


# ಪವಿತ್ರ ಬೈಬಲ್ 1831

The Old Kannada Version 1831

## Contents


| | |
|---|---|
| ಮತ್ತಾಯನು ಬರೆದ ಸುವಾರ್ತೆ | 1 |
| ಮಾರ್ಕನು ಬರೆದ ಸುವಾರ್ತೆ | 46 |
| ಲೂಕನು ಬರೆದ ಸುವಾರ್ತೆ | 76 |
| ಅಪೊಸ್ತಲರ ಕೃತ್ಯಗಳ | 127 |
| ಪೌಲನು ಕೊರಿಂಥದವರಿಗೆ ಬರೆದ ಮೊದಲನೆಯ ಪತ್ರಿಕೆ | 174 |
| ಪೌಲನು ಕೊರಿಂಥದವರಿಗೆ ಬರೆದ ಎರಡನೆಯ ಪತ್ರಿಕೆ | 194 |
| ಪೌಲನು ಎಫೆಸದವರಿಗೆ ಬರೆದ ಪತ್ರಿಕೆ | 208 |
| ಪೌಲನು ಕೊಲೊಸ್ಸಿಯವರಿಗೆ ಬರೆದ ಪತ್ರಿಕೆ. | 215 |
| ಪೌಲನು ಥೆಸಲೋನಿಕದವರಿಗೆ ಬರೆದ ಮೊದಲನೆಯ ಪತ್ರಿಕೆ. | 220 |
| ಪೌಲನು ಥೆಸಲೋನಿಕದವರಿಗೆ ಬರೆದ ಎರಡನೆಯ | 224 |
| ಪೌಲನು ತಿಮೊಥೆಯನಿಗೆ ಬರೆದ ಮೊದಲನೆಯ ಪತ್ರಿಕೆ | 227 |
| ಪೌಲನು ತಿಮೊಥೆಯನಿಗೆ ಬರೆದ ಎರಡನೇ ಪತ್ರಿಕೆ. | 233 |
| ಪೌಲನು ತೀತನಿಗೆ ಬರೆದ ಪತ್ರಿಕೆ | 237 |
| ಪೌಲನು ಫಿಲೆಮೋನನಿಗೆ ಬರೆದ ಪತ್ರಿಕೆ | 240 |
| ಯೋಹಾನನು ಬರೆದ ಪ್ರಕಟನೆ. | 242 |

# ಪವಿತ್ರ ಬೈಬಲ್ 1831

The Old Kannada Version 1831

Language: ಕನ್ನಡ (Kannada)
Provided by: Bible Society of India and Ceylon
Contributor: The Free Bible Foundation

This print-on-demand edition of Scripture is produced and provided at cost by the Digital Bible Society in partnership with the Bible League of Canada, Open Doors International, and other missions and translation agencies. To order additional copies of this or other Bibles, please visit www.dbs.org (USA), www.bibleleague.ca (Canada), and www.opendoors.org (Europe).

Copyright and Permission to Copy

Copyright © 1831,1951 Bible Society of India and Ceylon
This translation is in the Public Domain.

PDF, ePub, and MOBI Bible covers and design are copyrighted 2017 by the Digital Bible Society (www.dbs.org).

---

PDF generated on 2017-08-24 from source files dated 2017-08-24.
e98a128f-1028-592e-b220-239f620ffb29
ISBN: 978-1-5313-1052-3

# ಮತ್ತಾಯನು ಬರೆದ ಸುವಾರ್ತೆ

## ಯೇಸು ಕ್ರಿಸ್ತನ ವಂಶಾವಳಿಯು

೧ ೧ ಯೇಸು ಕ್ರಿಸ್ತನ ವಂಶಾವಳಿಯು. ಆತನು ದಾವೀದನ ವಂಶದವನು. ದಾವಿದನು ಅಬ್ರಹಾಮನ
ವಂಶದವನು ೨ ಅಬ್ರಹಾಮನು ಇಸಾಕನನ್ನು ಪಡೆದನು. ಇಸಾಕನು ಯಾಕೊಬನನ್ನು ಪಡೆದನು.
ಯಾಕೊಬನು ಯೆಹೂದನನ್ನೂ ಅವನ ಅಣ್ಣತಮ್ಮಂದಿರನ್ನೂ ಪಡೆದನು. ೩ ಯೆಹೂದನು
ತಾಮಾರಳಲ್ಲಿ ಪೆರೆಚನನ್ನೂ ಜೆರಹನನ್ನೂ ಪಡೆದನು.ಪೆರೆಚನು ಹೆಚ್ರೋನನನ್ನೂ ಪಡೆದನು.
೪ ಹೆಚ್ರೋನನು ಅರಾಮನನ್ನು ಪಡೆದನು ಅರಾಮನು ಅಮ್ಮೀನಾದಾಬನನ್ನು ಪಡೆದನು.
ಅಮ್ಮೀನಾದಾಬನು ನಹಶೋನನನ್ನು ಪಡೆದನು. ನಹಶೋನನು ಸಲ್ಮೋನನನ್ನು ಪಡೆದನು.
೫ ಸಲ್ಮೋನನು ರಾಹಾಬಳಲ್ಲಿ ಬೋವಜನನ್ನು ಪಡೆದನು. ಬೋವಜನು ರುತಳಲ್ಲಿ ಓಬೇದನನ್ನು
ಪಡೆದನು. ಓಬೇದನು ಇಷಯನನ್ನು ಪಡೆದನು. ೬ ಇಷಯನು ದಾವೀದನನ್ನು ಪಡೆದನು.
ದಾವೀದನು ಊರೀಯನ ಹೆಂಡತಿಯಾಗಿದ್ದವಳಲ್ಲಿ ಸೊಲೊಮೋನನನ್ನು ಪಡೆದನು.
೭ ಸೊಲೊಮೋನನು ರೆಹಬ್ಬಾಮನನ್ನು ಪಡೆದನು. ರೆಹಬ್ಬಾಮನು ಅಬೀಯನನ್ನು
ಪಡೆದನು. ಅಬೀಯನು ಆಸನನನ್ನು ಪಡೆದನು. ೮ ಆಸನು ಯೆಹೋಷಾಫಾಟನನ್ನು ಪಡೆದನು.
ಯೆಹೋಷಾಫಾಟನು ಯೆಹೋರಾಮನನ್ನು ಪಡೆದನು. ಯೆಹೋರಾಮನು ಉಜ್ಜೀಯನನ್ನು
ಪಡೆದನು. ೯ ಉಜ್ಜೀಯನು ಯೋತಾಮನನ್ನು ಪಡೆದನು. ಯೋತಾಮನು ಆಹಾಜನನ್ನು
ಪಡೆದನು . ಆಹಾಜನು ಹಿಜ್ಕೀಯನನ್ನು ಪಡೆದನು. ೧೦ ಹಿಜ್ಕೀಯನು ಮನಸ್ಸೆಯನ್ನು
ಪಡೆದನು. ಮನಸ್ಸೆಯು ಆಮೋನನನ್ನು ಪಡೆದನು. ೧೧ ಆಮೋನನು ಯೋಷೀಯನನ್ನು
ಪಡೆದನು.ಪ್ರಜೆಯು ಬಾಬೆಲಿಗೆ ಸೆರೆಹೋದ ಸಮಯದಲ್ಲಿ ಯೋಷಿಯನು ಯೆಕೊನ್ಯನ್ನೂ
ಅವನ ಅಣ್ಣತಮ್ಮಂದಿರನ್ನೂ ಪಡೆದನು. ೧೨ ಬಾಬೆಲಿಗೆ ಸೆರೆಹೋದ ಮೇಲೆ ಯೆಕೊನ್ಯನು
ಶೆಯಲ್ತಿಯೇಲನನ್ನು ಪಡೆದನು. ಶೆಯಲ್ತಿಯೇಲನು ಜೆರುಬ್ಬಾಬೇಲನನ್ನು ಪಡೆದನು
೧೩ ಜೆರುಬ್ಬಾಬೆಲನು ಅಬಿಹೂಒನನ್ನು ಪಡೆದನು. ಅಬಿಹೂದನು ಎಲ್ಯಕೀಮನನ್ನು ಪಡೆದನು.
ಎಲ್ಯಕೀಮನು ಅಜೋರನನ್ನು ಪಡೆದನು. ೧೪ ಅಜೋರನು ಸದೋಕನನ್ನು ಪಡೆದನು. ಸದೋಕನು
ಅಖೀಮನನ್ನು ಪಡೆದನು. ಅಖೀಮನು ಎಲಿಹೂದನನ್ನು ಪಡೆದನು. ೧೫ ಎಲಿಹೂದನು
ಎಲಿಯಾಜರನನ್ನು ಪಡೆದನು. ಎಲಿಯಾಜರನು ಮತ್ತಾನನನ್ನು ಪಡೆದನು. ಮತ್ತಾನನು
ಯಾಕೋಬನನ್ನು ಪಡೆದನು. ಯಾಕೋಬನು ಮರಿಯಳ ಗಂಡನಾದ ಯೋಸೇಫನನ್ನು ಪಡೆದನು.
ಈ ಮರಿಯಳಲ್ಲಿ ಯೇಸು ಹುಟ್ಟಿದನು.
೧೭ ಹೀಗೆ ಅಬ್ರಹಾಮನಿಂದ ದಾವೀದನ ವರೆಗೇ ಒಟ್ಟು ಹದಿನಾಲ್ಕು ತಲೆಗಳು. ದಾವೀದ
ಮೊದಲುಗೊಂಡು ಬಾಬೆಲಿಗೆ ಹೋಗುವವರೆಗೂ ಹದಿನಾಲ್ಕು ತಲೆಗಳು. ಬಾಬೆಲಿಗೆ
ಸೆರೆಹೋದಂದಿನಿಂದ ಕ್ರಿಸ್ತನವರೆಗೂ ಹದಿನಾಲ್ಕು ತಲೆಗಳು.

## ಯೇಸು ಕ್ರಿಸ್ತನ ಜನನವು

೧೮ ಯೇಸು ಕ್ರಿಸ್ತನ ಜನನವು ಹೇಗಾಯಿತಂದರೆ ಆತನ ತಾಯಿಯಾದ ಮರಿಯಳು
ಯೋಸೇಫನಿಗೆ ನಿಶ್ಚಯ ಮಾಡಿರಲಾಗಿ ಅವರು ಕೂಡುವದಕ್ಕಿಂತ ಮುಂಚೆ ಆಕೆಯು
ಪವಿತ್ರಾತ್ಮದಿಂದ ಬಸುರಾಗಿದ್ದದ್ದು ತಿಳಿದುಬಂತು. ೧೯ ಆದರೆ ಆಕೆಯ ಗಂಡನಾದ ಯೋಸೇಫನು
ಸಜ್ಜನನಾಗಿದ್ದು ಆಕೆದನ್ನು ಬೈಲಿಗೆ ತರುವದಕ್ಕೆ ಮನಸ್ಸಿಲ್ಲದೆ ಯಾರಿಗೂ ತಿಳಿಯದಂತೆ
ಆಕೆಯನ್ನು ಬಿಟ್ಟುಬಿಡಬೇಕೆಂದಿದ್ದನು. ೨೦ ಅವನು ಇದನ್ನು ಆಲೋಚಿಸುತ್ತಿರುವಾಗ, ಕರ್ತನ
ದೂತನು ಅವನಿಗೆ ಕನಸಿನಲ್ಲಿಕಾಣಿಸಿಕೊಂಡು – ಎಲೈ ಯೋಸೇಫನೇ, ದಾವೀದನ
ವಂಶದವನೇ, ನಿನ್ನ ಹೆಂಡತಿಯಾದ ಮರಿಯಳನ್ನು ಸೇರಿಸಿಕೊಳ್ಳುವದಕ್ಕೆ ಅಂಜಬೇಡ.
ಆಕೆಯ ಗರ್ಭವು ಪವಿತ್ರಾತ್ಮದಿಂದಲೇ ಆದದ್ದು. ೨೧ ಆಕೆಯು ಒಬ್ಬ ಮಗನನ್ನು ಹಡೆಯುವಳು
ನೀನು ಆತನಿಗೆ ಯೇಸು ಎಂದು ಹೆಸರಿಡಬೇಕು. ಯಾಕಂದರೆ ಆತನೇ ತನ್ನ ಜನರನ್ನು ಅವರ
ಪಾಪಗಳಿಂದ ಬಿಡಿಸಿಕಾಯುವವನು ಅಂದನು. ೨೨ ಕರ್ತನು ಪ್ರವಾದಿಯ ಮೂಖಾಂತರ ಹೇಳಿದ
ಮಾತು ನೆರವೇರುವಂತೆ ಇದೆಲ್ಲಾ ನಡೆಯಿತು ಆ ಮಾತು ಏನೆಂದರೆ,- ೨೩ ಇಗೋ, ಒಬ್ಬ
ಕನ್ಯಕೆಯು ಗರ್ಭಿಣಿಯಾಗಿ ಮಗನನ್ನು ಹಡೆಯುವಳು ಆತನಿಗೆ ಇಮ್ಮಾನುವೇಲ್ ಎಂದು

ಹೆಸರಿಡುವರು. ಎಂಬದು. ದೇವರು ನಮ್ಮ ಕೂಡ ಇದ್ದಾನೆಂದು ಈ ಹೆಸರಿನ ಅರ್ಥ ೨೪ ಆಗ
ಯೋಸೇಫನು ನಿದ್ದೆ ತಿಳಿದೆದ್ದು ಕರ್ತನ ದೂತನು ಅಪ್ಪಣೆಕೊಟ್ಟ ಹಾಗೆ ತನ್ನ ಹೆಂಡತಿಯನ್ನು
ಸೇರಿಸಿಕೊಂಡನು. ೨೫ ಆದರೆ ಆಕೆಯು ಗಂಡು ಮಗನನ್ನು ಹಡೆಯುವ ತನಕ ಆಕೆಯನ್ನು
ಅರಿಯಲಿಲ್ಲ. ಮಗುವಿಗೆ ಯೇಸುವೆಂದು ಹೆಸರಿಟ್ಟರು.

## ಜೋಯಿಸರು ಮೂಡಲಿಂದ ಬಂದು ಯೇಸುವಿಗೆ ನಮಸ್ಕರಿಸಿದ್ದು.

೨ ೧ ಅರಸನಾದ ಹೆರೋದನ ದಿನಗಳಲ್ಲಿ ಯೂದಾಯ ಸೀಮೆಯ ಬೇತ್ಲೆಹೇಮ್ ಎಂಬ
ಊರಲ್ಲಿ ಯೇಸು ಹುಟ್ಟಿದಾಗ ಮೂಡಣ ದೇಶದ ಜೋಯಿಸರು ಯೆರೂಸಲೇಮಿಗೆ ಬಂದು-
೨ ಯೆಹೂದ್ಯರ ಅರಸನಾಗಿ ಹುಟ್ಟಿದವನು ಎಲ್ಲಿದ್ದಾನೆ? ಆತನನ್ನು ಸೂಚಿಸುವ ನಕ್ಷತ್ರವನ್ನು ನಾವು
ಮೂಡಣ ದೇಶದಲ್ಲಿ ಕಂಡು ಆತನಿಗೆ ಅಡ್ಡಬೀಳುವದಕ್ಕೆ ಬಂದೆವು ಅಂದನು. ೩ ಇದನ್ನು ಕೇಳಿ
ಅರಸನಾದ ಹೆರೋದನು ಅವನ ಕೂಡ ಯೆರೂಸಲೇಮಿನವರೆಲ್ಲರೂ ಕಳವಳಪಟ್ಟರು. ೪ ಅವನು
ಯೆಹೂದ್ಯರ ಎಲ್ಲಾ ಮಹಾಯಾಜಕರನ್ನೂ ಶಾಸ್ತ್ರಿಗಳನ್ನೂ ಕೂಡಿಸಿ – ಕ್ರಿಸ್ತನು ಹುಟ್ಟಬೇಕಾದದ್ದು
ಎಲ್ಲಿ ಎಂದು ಅವರನ್ನು ಕೇಳಿದನು. ೫ ಅವರು ಅವನಿಗೆ – ಯೂದಾಯದ ಬೇತ್ಲೆಹೇಮಿನಲ್ಲಿಯೇ
ಯಾಕಂದರೆ ೬ ಯೆಹೂದ ಸೀಮೆಯ ಬೇತ್ಲೆಹೇಮೇ, ಯೆಹೂದದ ಮುಖ್ಯಪಟ್ಟಣಗಳಲ್ಲಿ ನೀನು
ಎಷ್ಟು ಮಾತ್ರವೂ ಸಣ್ಣದಲ್ಲ. ಒಬ್ಬ ಅಧಿಪತಿ ನಿನ್ನೊಳಗಿಂದ ಹೊರಡುವನು ಆತನು ನನ್ನ ಪ್ರಜೆಯಾದ
ಇಸ್ರಾಯೇಲನ್ನು ಆಳತಕ್ಕವನು. ಎಂಬದಾಗಿ ಪ್ರವಾದಿಯ ಮುಖಾಂತರ ಬರೆದದೆ ಎಂದು ಹೇಳಿದನು.
೭ ಆಗ ಹೆರೋದನು ಯಾರಿಗೂ ತಿಳಿಯದಂತೆ ಆ ಜೋಯಿಸರನ್ನು ಕರಿಸಿ ಆ ನಕ್ಷತ್ರವು ಕಾಣಿಸಿದ
ಕಾಲವನ್ನು ಅವರ ಕಡೆಯಿಂದ ಚೆನ್ನಾಗಿ ತಿಳುಕೊಂಡು – ನೀವು ಹೋಗಿ ಆ ಕೂಸಿನ ವಿಷಯದಲ್ಲಿ
ಚೆನ್ನಾಗಿ ವಿಚಾರಣೆ ಮಾಡಿರಿ. ಅದು ಸಿಕ್ಕಿದ ಮೇಲೆ ನನಗೆ ತಿಳಿಸಿರಿ ನಾನೂ ಬಂದು ಅದಕ್ಕೆ
ಅಡ್ಡ ಬೀಳಬೇಕು ಎಂದು ಹೇಳಿ ಅವರನ್ನು ಬೇತ್ಲೆಹೇಮಿಗೆ ಕಳುಹಿಸಿದನು.
೯ ಅವರು ಅರಸನ ಮಾತನ್ನು ಕೇಳಿ ಹೊರಟಾಗ ಮೂಡಣದೇಶದಲ್ಲಿ ಕಂಡ ನಕ್ಷತ್ರವು ಅವರ
ಮುಂದೆ ಮುಂದೆ ನಡೆದು ಕೂಸು ಇದ್ದ ಸ್ಥಳದ ಮೇಲೆ ಬಂದು ನಿಂತಿತು. ೧೦ ಅವರು ನಕ್ಷತ್ರವನ್ನು
ಕಂಡು ಸಂತೋಷಪಟ್ಟರು. ೧೧ ಮತ್ತು ಮನೆಯೊಳಕ್ಕೆ ಹೋಗಿ ಆ ಕೂಸನ್ನು ಅದರ ತಾಯಿಯಾದ
ಮರಿಯಳ ಬಳಿದಲ್ಲಿ ಕಂಡು ಅದಕ್ಕೆ ಸಾಷ್ಟಾಂಗ ನಮಸ್ಕಾರ ಮಾಡಿ ತಮ್ಮ ಗಂಟುಗಳನ್ನು ಬಿಚ್ಚಿ
ಅದಕ್ಕೆ ಚಿನ್ನ, ದೂಪ ರಕ್ತಬೋಳಗಳನ್ನು ಕಾಣಿಕೆಯಾಗಿ ಕೊಟ್ಟರು. ೧೨ ಆ ಮೇಲೆ ದೇವರು
ಕನಸಿನಲ್ಲಿ ಅವರಿಗೆ – ನೀವು ಹೆರೋದನ ಬಳಿಗೆ ಹೋಗಬಾರದೆಂದು ಅಪ್ಪಣೆಕೊಟ್ಟದ್ದರಿಂದ
ಅವರು ಮತ್ತೊಂದು ದಾರಿಯಿಂದ ತಮ್ಮ ದೇಶಕ್ಕೆ ಹೊರಟುಹೋದರು.

## ಅರಸನು ಯೇಸುವನ್ನುಕೊಲ್ಲುವದಕ್ಕೆ ಪ್ರಯತ್ನ ಮಾಡಿದ್ದು.

೧೩ ಅವರು ಹೋದ ಮೇಲೆ ಕರ್ತನ ದೂತನು ಯೋಸೇಫನಿಗೆ ಕನಸಿನಲ್ಲಿ ಕಾಣಿಸಿಕೊಂಡು
– ನೀನು ಎದ್ದು ಆ ಕೂಸನ್ನೂ ಇದರ ತಾಯಿಯನ್ನೂ ಕರಕೊಂಡು ಐಗುಪ್ತ ದೇಶಕ್ಕೆ ಓಡಿಹೋಗಿ
ನಾನು ನಿನಗೆ ಹೇಳುವತನಕ ಅಲ್ಲೇ ಇರು. ಹೆರೋದನು ಈ ಕೂಸನ್ನು ಕೊಲ್ಲಬೇಕೆಂದು ಅದನ್ನು
ಹುಡುಕುತ್ತಿರುವನು. ಅಂದನು. ೧೪ ಆಗ ಅವನು ಎದ್ದು ಕೂಸನ್ನೂ ಅದರ ತಾಯಿಯನ್ನೂ ರಾತ್ರಿ
ವೇಳೆಯಲ್ಲಿ ಕರಕೊಂಡು ಐಗುಪ್ತ ದೇಶಕ್ಕೆ ಹೊರಟುಹೋಗಿ ಹೆರೋದನು ತೀರಿಹೋಗುವ
ತನಕ ಅಲ್ಲೇ ಇದ್ದನು. ೧೫ ಇದರಿಂದ ನನ್ನ ಮಗನನ್ನು ಐಗುಪ್ತದೊಳಗಿಂದ ಕರೆದೆನೆಂದು ಕರ್ತನು
ಪ್ರವಾದಿಯ ಮುಖಾಂತರ ಹೇಳಿದ ಮಾತು ನೆರವೇರಿತು.
೧೬ ಆಗ ಹೆರೋದನು ತನಗೆ ಜೋಯಿಸರು ಮೋಸಮಾಡಿದರೆಂದು ತಿಳಿದು ಬಹಳ
ಸಿಟ್ಟಾಗಿ ಆಳುಗಳನ್ನು ಕಳುಹಿಸಿ ತಾನು ಜೋಯಿಸರಿಂದ ತಿಳುಕೊಂಡ ಕಾಲಕ್ಕೆ ಸರಿಯಾಗಿ
ಬೇತ್ಲೆಹೇಮಿನಲ್ಲಿಯೂ ಅದರ ಎನ್ನಾ ನೆರೆಹೊರೆ ಹಳ್ಳಿಗಳಲ್ಲಿಯೂ ಎರಡು ವರುಷದೊಳಗಿನ
ಗಂಡು ಕೂಸುಗಳನ್ನೆಲ್ಲಾ ಕೊಲ್ಲಿಸಿದನು. ೧೭ ಯೆರೆಮೀಯನೆಂಬ ಪ್ರವಾದಿಯು ಹೇಳಿದ
ಮಾತು ಆ ಕಾಲದಲ್ಲಿ ನೆರವೇರಿತು. ಅದೇನಂದರೆ – ೧೮ ರಾಮದಲ್ಲಿ ಬೊಬ್ಬೆಯು ಕೇಳಿಸಿತು.
ಅಳುವಿಕೆಯೂ ಬಹು ಗೋಳಾಟವೂ ಉಂಟಾದವು. ರಾಹೇಲು ತನ್ನ ಮಕ್ಕಳಿಗೋಸ್ಕರ ಅತ್ತತ್ತು
ಅವರು ಇಲ್ಲದೆ ಹೋದದ್ದಕ್ಕಾಗಿ ಸಮಾಧಾವ ಹೊಂದಲೊಲ್ಲದೆ ಇದ್ದಳು ಎಂಬದು. ೧೯ ಹೆರೋದನು
ತೀರಿಹೋದ ಮೇಲೆ ಐಗುಪ್ತದೇಶದಲ್ಲಿ ಕರ್ತನ ದೂತನು ಯೋಸೇಫನಿಗೆ ಕನಸಿನಲ್ಲಿ
ಕಾಣಿಸಿಕೊಂಡು – ೨೦ ನೀನು ಎದ್ದು ಕೂಸನ್ನೂ ಅವರ ತಾಯಿಯನ್ನೂ ಕರಕೊಂಡು ಇಸ್ರಾಯೇಲ
ದೇಶಕ್ಕೆ ಹೋಗು. ಕೂಸಿನ ಪ್ರಾಣವನ್ನು ತೆಗೆಯಬೇಕೆಂದಿದ್ದವರು ಸತ್ತು ಹೋದರು ಎಂದು

ಹೇಳಿದನು. ೨೧ ಆಗ ಯೋಸೇಫನು ಎದ್ದು ಕೂಸನ್ನೂ ಅದರ ತಾಯಿಯನ್ನೂ ಕರಕೊಂಡು
ಇಸ್ರಾಯೇಲ ದೇಶಕ್ಕೆ ಬಂದನು. ೨೨ ಆದರೆ ಅರ್ಖೆಲಾಯನು ತನ್ನ ತಂದೆಯಾದ ಹೆರೋದನ
ಬದಲಾಗಿ ಯೂದಾಯವನ್ನು ಆಳುತ್ತಾನೆಂದು ಕೇಳಿ ಅಲ್ಲಿ ಹೋಗುವದಕ್ಕೆ ಅಂಜಿದನು. ಆಗ
ಅವನು ಕನಸಿನಲ್ಲಿ ದೇವರ ಅಪ್ಪಣೆಯನ್ನು ಹೊಂದಿ ಗಲಿಲಾಯ ಸೀಮೆಗೆ ಹೋದನು. ೨೩ ಮತ್ತು
ನಜರೇತೆಂಬ ಊರಿಗೆ ಬಂದು ಅಲ್ಲಿ ಮನೆಮಾಡಿಕೊಂಡು ಇದ್ದನು. ಇದರಿಂದ – ನಜರಾಯನೆಂಬ
ಹೆಸರು ಆತನಿಗೆ ಬರುವದು ಎಂಬದಾಗಿ ಪ್ರವಾದಿಗಳಿಂದ ಹೇಳಿಸಿರುವ ಮಾತು ನೆರವೇರಿತು.

## ಸ್ನಾನಿಕನಾದ ಯೋಹಾನನ ಉಪದೇಶ

೩ ೧ ಆ ದಿನಗಳಲ್ಲಿ ಸ್ನಾನಿಕನಾದ ಯೋಹಾನನು ೨ ಪರಲೋಕರಾಜ್ಯವು ಸಮೀಪವಾಯಿತು
ದೇವರ ಕಡೆಗೆ ತಿರುಗಿಕೊಳ್ಳಿರಿ ಎಂದು ಯೂದಾಯದ ಅಡವಿಯಲ್ಲಿ ಸಾರಿ ಹೇಳುತ್ತಾ
ಬಂದನು. ೩ ಕರ್ತನ ದಾರಿಯನ್ನು ಸಿದ್ಧಮಾಡಿರಿ ಆತನ ಹಾದಿಯನ್ನು ನೆಟ್ಟಗೆ ಮಾಡಿರಿ
ಎಂದು ಅಡವಿಯಲ್ಲಿ ಕೂಗುವವನ ಶಬ್ಧವದೆ ಎಂಬದಾಗಿ ಪ್ರವಾದಿಯಾದ ಯೆಶಾಯನಿಂದ
ಸೂಚಿತನಾದವನೇ ಇವನೇ. ೪ ಈ ಯೋಹಾನನು ಒಂಟೇ ಕೂದಲಿನ ಹೊದಿಕೆಯೂ
ಸೊಂಟದಲ್ಲಿ ತೊಗಲಿನ ನಡುಕಟ್ಟು ಇದ್ದವು. ಅವನಿಗೆ ಮಿಡತೆ ಮತ್ತು ಕಾಡುಜೇನು
ಆಹಾರವಾಗಿದ್ದವು.
ಆಗ ಯುರೂಸಲೇಮು ಎಲ್ಲಾ ಯೂದಾಯವೂ ಯೊರ್ದನ ಹೊಳೆಯ ಸುತ್ತಲಿರುವ ಎಲ್ಲಾ
ಸೀಮೆಯೂ ಅವನ ಬಳಿಗೆ ಹೊರಟು ಹೋಗಿ ೬ ಅವರು ತಮ್ಮ ತಮ್ಮ ಪಾಪಗಳನ್ನು ಹೇಳಿಕೊಂಡು
ಯೊರ್ದನ ಹೊಳೆಯಲ್ಲಿ ಅವನಿಂದ ದೀಕ್ಷಾಸ್ನಾನಮಾಡಿಸಿಕೊಳ್ಳುತ್ತಿದ್ದರು.
೭ ಆದರೆ ಅವನು ಫರಿಸಾಯರಲ್ಲಿಯೂ ಸದ್ದುಕಾಯರಲ್ಲಿಯೂ ಅನೇಕರು ತನ್ನಿಂದ
ಸ್ನಾನಮಾಡಿಸಿಕೊಳ್ಳುವದಕ್ಕೆ ಬರುವದನ್ನು ಕಂಡು ಅವರಿಗೆ – ಎಲೈ ಸರ್ಪಜಾತಿಯವರೇ ಮುಂದೆ
ಕಾಣಬರುವ ದೈವಕೋಪದಿಂದ ತಪ್ಪಿಸಿಕೊಳ್ಳುವದಕ್ಕೆ ನಿಮಗೆ ಉಪದೇಶಮಾಡಿದವರಾರು?
೮ ಹಾಗಾದರೆ ನಿಮ್ಮ ಮನಸ್ಸು ದೇವರ ಕಡೆಗೆ ತಿರುಗಿತೆಂಬದನ್ನು ತಕ್ಕ ಫಲದಿಂದ ತೋರಿಸಿರಿ.
೯ ಅಬ್ರಹಾಮನು ನಮಗೆ ಮೂಲಪುರುಷನಲ್ಲವೇ ಎಂಬುವ ಆಲೋಚನೆಯನ್ನು ಬಿಡಿರಿ.
ದೇವರು ಅಬ್ರಹಾಮನಿಗೆ ಈಕಲ್ಲುಗಳಿಂದಲೂ ಮಕ್ಕಳನ್ನು ಹುಟ್ಟಿಸಬಲ್ಲನೆಂದು ನಿಮಗೆ
ಹೇಳುತ್ತೇನೆ. ೧೦ ಈಗಲೇ ಮರಗಳ ಬೇರಿಗೆ ಕೊಡಲಿ ಹಾಕಿಯದೆ. ಒಳ್ಳೇ ಫಲವನ್ನು ಕೊಡದ
ಪ್ರತಿಯೊಂದು ಮರವನ್ನು ಕಡಿದು ಬೆಂಕಿಯಲ್ಲಿ ಹಾಕುವರು. ೧೧ ನಾನಂತೂ ನಿಮ್ಮ ಮನಸ್ಸು
ತಿರುಗಿಕೊಳ್ಳಬೇಕೆಂಬದಕ್ಕೆ ನಿಮಗೆ ನೀರಿನಲ್ಲಿ ಸ್ನಾನ ಮಾಡಿಸುತ್ತೇನೆ. ಆದರೆ ನನ್ನ ಹಿಂದೆ
ಬರುವವನು ನನಗಿಂತ ಶಕ್ತನು ಆತನ ಕೆರಗಳನ್ನು ಹೊರಲಿಕ್ಕೂ ನಾನು ಯೋಗ್ಯನಲ್ಲ. ಆತನು
ಪವಿತ್ರಾತ್ಮದಲ್ಲಿಯೂ ಬೆಂಕಿಯಲ್ಲಿಯೂ ನಿಮಗೆ ಸ್ನಾನಮಾಡಿಸುವನು. ೧೨ ಆತನು ಮೊರವನ್ನು
ಕೈಯಲ್ಲಿ ಹಿಡಿದಿದ್ದಾನೆ. ತನ್ನ ಕಣದಲ್ಲಿಯ ರಾಶಿಯನ್ನು ತೂರಿ ಹಸನು ಮಾಡಿ ತನ್ನ ಗೋದಿಯನ್ನು
ಕಣಜದಲ್ಲಿ ತುಂಬಿಕೊಂಡು ಹೊಟ್ಟನ್ನು ಆರದ ಬೆಂಕಿಯಲ್ಲಿ ಸುಟ್ಟು ಬಿಡುವನು ಎಂದು ಹೇಳಿದನು.

## ಯೇಸು ದೀಕ್ಷಾಸ್ನಾನ ಮಾಡಿಸಿಕೊಂಡಿದ್ದು.

(ಮಾರ್ಕ ೧ .೯-೧೧ ಲೂಕ ೩ . ೨೧,೨೨)

೧೩ ಆ ಕಾಲದಲ್ಲಿ ಯೇಸು ಯೋಹಾನನಿಂದ ಸ್ನಾನ ಮಾಡಿಸಿಕೊಳ್ಳಬೇಕೆಂದು
ಗಲಿಲಾಯದಿಂದ ಯೊರ್ದಾನ ಹೊಳೆಗೆ ಬಂದನು. ೧೪ ಆಗ ಯೋಹಾನನು - ನಾನು ನಿನ್ನಿಂದ
ಸ್ನಾನಮಾಡಿಸಿಕೊಳ್ಳತಕ್ಕವನಾಗಿರುವಲ್ಲಿ ನೀನು ನನ್ನ ಬಳಿಗೆ ಬರುವದೇನು ಎಂದು ಹೇಳಿ
ಆತನನ್ನು ತಡೆಯುತ್ತಾ ಇದ್ದನು. ೧೫ ಆದರೆ ಯೇಸು ಅವನಿಗೆ ಸಧ್ಯಕ್ಕೆ ಒಪ್ಪಿಕೋ. ಹೀಗೆ ನಾವು
ಎಲ್ಲಾ ಧರ್ಮವನ್ನು ನೆರವೇರಿಸತಕ್ಕದ್ದಾಗಿದೆ ಎಂದು ಹೇಳಿದಾಗ ಅವನು ಒಪ್ಪಿಕೊಂಡನು.
೧೬ ಯೇಸು ಸ್ನಾನಮಾಡಿಸಿಕೊಂಡ ಕೂಡಲೇ ನೀರಿನಿಂದ ಮೇಲಕ್ಕೆ ಬರಲು ಇಗೋ ಅತನಿಗೆ
ಆಕಾಶವು ತೆರೆಯಿತು. ಮತ್ತು ದೇವರ ಆತ್ಮ ಪಾರಿವಾಳದ ಹಾಗೆ ಇಳಿದು ತನ್ನ ಮೇಲೆ ಬರುವದನ್ನು
ಕಂಡನು. ೧೭ ಆಗ ಈತನು ಪ್ರಿಯನಾಗಿರುವ ನನ್ನ ಮಗನು ಈತನನ್ನು ನಾನು ಮೆಚ್ಚಿದ್ದೇನೆ ಎಂದು
ಆಕಾಶವಾಣಿ ಆಯಿತು.

## ಸೈತಾನನು ಯೇಸುವನ್ನು ಪಾಪದಲ್ಲಿ ಸಿಕ್ಕಿಸುವದಕ್ಕೆ ಪ್ರಯತ್ನಿಸಿದ್ದು

(ಮಾರ್ಕ ೧ ; ೧೨,೧೩ ; ಲೂಕ ೪: ೧-೧೩.)

೪ ೧ ಆಗ ಯೇಸು ಸೈತಾನನಿಂದ ಶೋಧಿಸಲ್ಪಡುವದಕ್ಕಾಗಿ ಆತ್ಮನು ಆತನನ್ನು ಅಡವಿಗೆ ಒಯ್ದನು.
೨ ಆತನು ಹಗಲಿರುಳು ಉಪವಾಸವಿದ್ದ ತರುವಾಯ ಆತನಿಗೆ ಹಸಿವಾಯಿತು.
೩ ಆಗ ಆ ಶೋಧಕನು ಆತನ ಬಳಿಗೆ ಬಂದು – ನೀನು ದೇವರ ಮಗನಾಗಿದ್ದರೆ ಈ
ಕಲ್ಲುಗಳನ್ನು ರೊಟ್ಟಿಯಾಗುವಂತೆ ಅಪ್ಪಣೆಕೊಡು ಎಂದು ಹೇಳಲು, ೪ ಆತನು – ಮನುಷ್ಯನು ರೊಟ್ಟಿ
ತಿಂದ ಮಾತ್ರದಿಂದ ಬದುಕುವದಿಲ್ಲ . ದೇವರಿಂದ ಹೊರಡುವ ಪ್ರತಿಯೊಂದು ಮಾತಿನಿಂದಲೂ
ಬದುಕುವನು ಎಂದು ಬರೆದಿದೆ ಅಂದನು.
೫ ಆಗ ಸೈತಾನನು ಆತನನ್ನು ಪರಿಶುದ್ಧ ಪಟ್ಟಣಕ್ಕೆ ಕರಕೊಂಡು ಹೋಗಿ ದೇವಾಲಯದ ಶಿಖರದ
ಮೇಲೆ ನಿಲ್ಲಿಸಿ , ೬ ಆತನಿಗೆ – ನೀನು ದೇವರ ಮಗನಾಗಿದ್ದರೆ ಕೆಳಕ್ಕೆ ದುಮುಕು; ಆತನು ನಿನ್ನ
ವಿಷಯವಾಗಿ ತನ್ನ ದೂತರಿಗೆ ಅಪ್ಪಣೆಕೊಡುವನು . ನಿನ್ನ ಕಾಲು ಕಲ್ಲಿಗೆ ತಗಲೀತೆಂದು ಅವರು
ನಿನ್ನನ್ನು ಕೈಗಳಲ್ಲಿ ಎತ್ತಿಕೊಳ್ಳುವರು. ಎಂಬದಾಗಿ ಬರೆದಿದೆಯಲ್ಲಾ. ಎಂದು ಹೇಳಿದನು. ೭ ಅದಕ್ಕೆ
ಯೇಸು - ನಿನ್ನ ದೇವರಾಗಿರುವ ಕರ್ತನನ್ನು ಪರೀಕ್ಷಿಸಬಾರದು ಎಂಬದಾಗಿ ಸಹ ಬರೆದಿದೆ.
ಅಂದನು. ೮ ಬಳಿಕ ಸೈತಾನನು ಆತನನ್ನು ಬಹಳ ಎತ್ತರವಾದ ಬೆಟ್ಟಕ್ಕೆ ಕರಕೊಂಡು ಹೋಗಿ
ಪ್ರಪಂಚದ ಎಲ್ಲಾ ರಾಜ್ಯಗಳನ್ನೂ ಅವುಗಳ ವೈಭವವನ್ನೂ ಆತನಿಗೆ ತೋರಿಸಿ ೯ ನೀನು ನನಗೆ
ಸಾಷ್ಟಾಂಗ ನಮಸ್ಕಾರ ಮಾಡಿದರೆ ಇವುಗಳನ್ನೆಲ್ಲಾ ನಿನಗೆ ಕೊಡುವೆನು ಅಂದನು. ೧೦ ಯೇಸು
ಅವನಿಗೆ- ಸೈತಾನನೇ, ನೀನು ತೊಲಗಿ ಹೋಗು. ನಿನ್ನ ದೇವರಾಗಿರುವ ಕರ್ತನಿಗೆ ಅಡ್ಡಬಿದ್ದು
ಆತನೊಬ್ಬನನ್ನೇ ಆರಾಧಿಸಬೇಕು ಎಂಬದಾಗಿ ಬರೆದದೆ ಎಂದು ಹೇಳಿದನು.
೧೧ ಆಗ ಸೈತಾನನು ಆತನನ್ನು ಬಿಟ್ಟು ಬಿಟ್ಟನು. ಮತ್ತು ದೇವದೂತರು ಬಂದು ಆತನಿಗೆ ಉಪಚಾರ
ಮಾಡಿದರು.

## ಯೇಸು ಗಲಿಲಾಯ ಸೀಮೆಯಲ್ಲಿ ಸುವಾರ್ತ ಸಾರುವದಕ್ಕೆ ಪ್ರಾರಂಭಮಾಡಿದ್ದು.

(ಮಾರ್ಕ ೧ ,೧೪,೧೫ ; ಲೂಕ ೪, ೧೪,೧೫)

೧೨ ಯೋಹಾನನು ಸೆರೆಗೆ ಬಿದ್ದನೆಂದು ಯೇಸು ಕೇಳಿ ಆ ಸ್ಥಳವನ್ನು ಬಿಟ್ಟು ಗಲಿಲಾಯ
ಸೀಮೆಗೆ ಹೊರಟು ಹೋದನು. ೧೩ ಬಳಿಕ ನಜರೇತೆಂಬ ಊರನ್ನು ಬಿಟ್ಟು ಜೆಬುಲೋನ
ನಿಪ್ತಲೀಮ ಎಂಬ ನಾಡುಗಳಿಗೆ ಬಂದು ಸಮುದ್ರದ ಹತ್ತಿರದಲ್ಲಿರುವ ಕಪೆರ್ನೌಮೆಂಬ ಊರಿನಲ್ಲಿ
ಮನೆಮಾಡಿಕೊಂಡು ಇದ್ದನು. ೧೪ ಇದರಿಂದ ಯೆಶಾಯನೆಂಬ ಪ್ರವಾದಿಯ ಮುಖಾಂತರ
ಹೇಳಿಸಿರುವ ಮಾತು ನೆರವೇರಿತು , ಆ ಮಾತು ಏನಂದರೆ – ೧೫ ಜೆಬುಲೋನ್ ಸೀಮೆ ಮತ್ತು
ನಿಪ್ತಲೀಮ್ ಸೀಮೆ ಯೊರ್ದನಿನ ಆಚೆ ಸಮುದ್ರದ ಕಡೆಗಿರುವ ಸೀಮೆ , ಅನ್ಯಜನಗಳಿರುವ
ಗಲಿಲಾಯ ಸೀಮೆ ೧೬ ಕತ್ತಲಲ್ಲಿ ವಾಸಿಸಿದ ಈ ಸೀಮೆಗಳ ಜನರಿಗೆ ದೊಡ್ಡ ಬೆಳಕು ಕಾಣಿಸಿತು.
ಕಾರ್ಗತ್ತಲಾದ ದೇಶದಲ್ಲಿದ್ದವರಿಗೆ ಸೂರ್ಯೋದಯವಾಯಿತು ಎಂಬದು. ೧೭ ಅಂದಿನಿಂದ
ಯೇಸು – ಪರಲೋಕ ರಾಜ್ಯವು ಸಮೀಪಿಸಿತು. ದೇವರ ಕಡೆಗೆ ತಿರುಗಿಕೊಳ್ಳಿರಿ ಎಂದು ಸಾರಿ
ಹೇಳುವದಕ್ಕೆ ಪ್ರಾರಂಭಿಸಿದನು.

## ಯೇಸು ಪ್ರಥಮ ಶಿಷ್ಯರನ್ನು ಮಾಡಿಕೊಂಡಿದ್ದು.

(ಮಾರ್ಕ ೧ ;. ೧೬-೨೦ ಲೂಕ ೫ . ೨-೧೧; ಯೋಹಾ ೧. ೪೦-೪೨ )

೧೮ ಹೀಗಿರುವಲ್ಲಿ ಯೇಸು ಗಲಿಲಾಯ ಸಮುದ್ರದ ಬಳಿಯಲ್ಲಿ ತಿರುಗಾಡುತ್ತಿರುವಾಗ
ಅಣ್ಣತಮ್ಮಂದಿರಿಬ್ಬರು ಬಲೆಬೀಸುವದನ್ನು ಕಂಡನು. ಅವರು ಪೇತ್ರನೆನಿಸಿಕೊಳ್ಳುವ
ಸೀಮೋನಮತ್ತು ಅವನ ತಮ್ಮನಾದ ಅಂದ್ರೇಯ. ಅವರು ಬೆಸ್ತರು. ಸಮುದ್ರದಲ್ಲಿ ಬಲೆ
ಬೀಸುತ್ತಿದ್ದರು. ೧೯ ಅವರಿಗೆ ಆತನು ನನ್ನ ಹಿಂದೆ ಬನ್ನಿರಿ ಮನುಷ್ಯರನ್ನು ಹಿಡಿಯುವ ಬೆಸ್ತರನ್ನಾಗಿ
ನಿಮ್ಮನ್ನು ಮಾಡುವೆನು ಎಂದು ಹೇಳುತ್ತಲೇ, ೨೦ ಅವರು ತಮ್ಮ ಬಲೆಗಳನ್ನು ಬಿಟ್ಟು ಆತನ ಹಿಂದೆ
ಹೋದರು. ೨೧ ಯೇಸು ಅಲ್ಲಿಂದ ಮುಂದೆ ಹೋಗಿ ಇನ್ನಿಬ್ಬರು ಅಣ್ಣ ತಮ್ಮಂದಿರನ್ನು ಅಂದರೆ
ಜೆಬೆದಾಯನ ಮಗನಾದ ಯಾಕೋಬನನ್ನು ಅವನ ತಮ್ಮನಾದ ಯೋಹಾನನ್ನೂ ಕಂಡನು ಇವರು
ತಮ್ಮ ತಂದೆಯಾದ ಜೆಬೆದಾಯನ ಕೂಡ ದೋಣಿಯಲ್ಲಿ ತಮ್ಮ ಬಲೆಗಳನ್ನು ಸರಿಮಾಡುತ್ತಿದ್ದನು.

ಆತನು ಇವರನ್ನು ಕರೆದನು. [೨೨] ಕೂಡಲೆ ಅವರು ದೋಣಿಯನ್ನೂ ತಮ್ಮ ತಂದೆಯನ್ನೂ ಬಿಟ್ಟು
ಆತನನ್ನು ಹಿಂಬಾಲಿಸಿದರು.

### ಯೇಸು ಸುವಾರ್ತೆಯನ್ನು ಸಾರಿ ರೋಗಗಳನ್ನು ಪರಿಹರಿಸಿ ಹೆಸರುಗೊಂಡದ್ದು.

ಮಾರ್ಕ ೧ ,೩೯ ; ಲೂಕ ೪ . ೧೫-೪೪; ೬ . ೧೭ -೧೯)

[೨೩] ಬಳಿಕ ಯೇಸು ಗಲಿಲಾಯದಲ್ಲೆಲ್ಲಾ ತಿರುಗಾಡಿ ಅಲ್ಲಿಯವರ ಸಭಾಮಂದಿರಗಳಲ್ಲಿ
ಉಪದೇಶ ಮಾಡುತ್ತಾ ಪರಲೋಕ ರಾಜ್ಯದ ಸುವಾರ್ತೆಯನ್ನು ಸಾರಿ ಹೇಳುತ್ತಾ ಜನರ ಎಲ್ಲಾ
ತರದ ರೋಗಗಳನ್ನು ಎಲ್ಲಾ ತರದ ಬೇನೆಗಳನ್ನು ವಾಸಿಮಾಡುತ್ತಾ ಬಂದನು. [೨೪] ಆತನ ಸುದ್ದಿಯು
ಸಿರಿಯಾ ದೇಷದಲ್ಲೆಲ್ಲಾ ಹಬ್ಬಿದ್ದರಿಂದ ಮೈಯಲ್ಲಿ ನೆಟ್ಟಗಿಲ್ಲದವರನ್ನು ,ಅಂದರೆ ತರತರದ
ರೋಗಬಾಧೆಗಳಿಂದ ಕಷ್ಟಪಡುವವರನ್ನೂ ದೆವ್ವಹಿಡಿದವರನ್ನೂ ಮೂರ್ಛಾರೋಗಿಗಳನ್ನೂ
ಪಾರ್ಶ್ವವಾಯುವಿನವರನ್ನೂ ಆತನ ಬಳಿಗೆ ಕರತಂದರು. [೨೫] ಮತ್ತು ಗಲಿಲಾಯ ದೆಕಪೊಲಿ
ಯೆರೂಸಲೇಮ್ ಯೂದಾಯ ಎಂಬೀ ಸ್ಥಳಗಳಿಂದಲೂ ಯೊರ್ದನ ಹೊಳೆಯ ಆಚೇ
ಕಡೆಯಿಂದಲೂ ಜನರು ಗುಂಪು ಗುಂಪಾಗಿ ಆತನ ಹಿಂದೆ ಹೋದರು.

### ಯೇಸು ಪರ್ವತದ ಮೇಲೆ ಮಾಡಿದ ಪ್ರಸಂಗವು

(ಲೂಕ ೬ .೨೦-೪೯ ; ೧; ೪ . ೯-೧೫ ೩೩-೩೬ ; ೧೨, ೨೨-೨೪; ೫೭-೫೯ ; ೧೬. ೧೭,೧೮)

೫ [೧] ಆತನು ಆ ಜನರ ಗುಂಪುಗಳನ್ನು ಕಂಡು ಬೆಟ್ಟವನ್ನೇರಿ ಕೂತುಕೊಂಡ ತರುವಾಯ ಆತನ
ಶಿಷ್ಯರು ಆತನ ಬಳಿಗೆ ಬಂದರು. [೨] ಆತನು ಅವರಿಗೆ ಉಪದೇಶ ಮಾಡಿ ಹೇಳಿದ್ದೇನಂದರೆ,
[೩] ಆತ್ಮದಲ್ಲಿ ಬಡವರಾಗಿರುವವರು ಧನ್ಯರು ಪರಲೋಕ ರಾಜ್ಯವು ಅವರದು . [೪] ದುಃಖಪಡುವವರು
ಧನ್ಯರು .ಅವರು ಸಮಾಧಾನ ಹೊಂದುವರು. [೫] ಶಾಂತರು ಧನ್ಯರು ಅವರು ಭೂಮಿಗೆ
ಬಾಧ್ಯರಾಗುವರು. [೬] ನೀತಿಗೆ ಹಸಿದು ಬಾಯಾರಿದವರು ಧನ್ಯರು ಅವರಿಗೆ ತೃಪ್ತಿಯಾಗುವದು.
[೭] ಕರುಣೆಯುಳ್ಳವರು ಧನ್ಯರು ಅವರು ಕರುಣೆ ಹೊಂದುವರು. [೮] ನಿರ್ಮಲಚಿತ್ತರು ಧನ್ಯರು
ಅವರು ದೇವರನ್ನು ನೋಡುವರು. [೯] ಸಮಾಧಾನ ಪಡುವವರು ಧನ್ಯರು ಅವರು ದೇವರ
ಮಕ್ಕಳು ಅನ್ನಿಸಿಕೊಳ್ಳುವರು. [೧೦] ನೀತಿಯ ನಿಮಿತ್ತವಾಗಿ ಹಿಂಸೆಯನ್ನು ತಾಳಿಕೊಳ್ಳುವವರು
ಧನ್ಯರು ಪರಲೋಕ ರಾಜ್ಯವು ಅವರದು. [೧೧] ನನ್ನ ನಿಮಿತ್ತವಾಗಿ ಜನರು ನಿಮ್ಮನ್ನು ನಿಂದಿಸಿ
ಹಿಂಸೆಪಡಿಸಿ ನಿಮ್ಮ ಮೇಲೆ ಕೆಟ್ಟ ಕೆಟ್ಟ ಮಾತುಗಳನ್ನು ಸುಳ್ಳಾಗಿ ಹೊರಸಿದರೆ ನೀವು
ಧನ್ಯರು. [೧೨] ಸಂತೋಷಪಡಿರಿ ಉಲ್ಲಾಸಪಡಿರಿ ಪರಲೋಕದಲ್ಲಿ ನಿಮಗೆ ಬಹಳ ಫಲ ಸಿಕ್ಕುವದು.
ನಿಮಗಿಂತ ಮುಂಚೆ ಇದ್ದ ಪ್ರವಾದಿಗಳನ್ನೂ ಹೀಗೆಯೇ ಹಿಂಸೆಪಡಿಸಿದರಲ್ಲಾ.
[ನೀವು]ಭೂಮಿಗೆ ಉಪ್ಪಾಗಿದ್ದೀರಿ. ಉಪ್ಪು ಸಪ್ಪಗಾದರೆ ಅದಕ್ಕೆ ಇನ್ನಾತರಿಂದ ಉಪ್ಪಿನ ರುಚಿ
ಬಂಧೀತು ? ಜನರು ಅದನ್ನು ಹೊರಗೆ ಹಾಕಿ ತುಳಿಯುವದಕ್ಕೆ ಅದು ಯೋಗ್ಯವೇ ಹೊರತು
ಮತ್ತಾವ ಕೆಲಸಕ್ಕೆ ಬಾರದು. [೧೪] ನೀವು ಲೋಕಕ್ಕೆ ಬೆಳಕಾಗಿದ್ದೀರಿ. ಗುಡ್ಡದ ಮೇಲೆ ಕಟ್ಟಿರುವ
ಊರು ಮರೆಯಾಗಿರಲಾರದು. [೧೫] ಮತ್ತು ದೀಪವನ್ನು ಹತ್ತಿಸಿ ಕೊಳಗದೊಳಗೆ ಇಡುವದಿಲ್ಲ.
ದೀಪಸ್ತಂಭದ ಮೇಲೆ ಇಡುತ್ತಾರಷ್ಟೆ. ಆಗ ಅದು ಮನೆಯಲ್ಲಿರುವವರೆಲ್ಲರಿಗೆ ಬೆಳಕುಕೊಡುವದು.
[೧೬] ಅದರಂತೆ ನಿಮ್ಮ ಬೆಳಕು ಜನರ ಮುಂದೆ ಪ್ರಕಾಶಿಸಲಿ ಹೇಗಾದರೆ ಅವರು ನಿಮ್ಮ ಒಳ್ಳೇ
ಕ್ರಿಯೆಗಳನ್ನು ನೋಡಿ ಪರಲೋಕದಲ್ಲಿರುವ ನಿಮ್ಮ ತಂದೆಯನ್ನು ಕೊಂಡಾಡುವರು.
[೧೭] ಮೋಶೆಯ ಧರ್ಮಶಾಸ್ತ್ರವನ್ನಾಗಲಿ ಪ್ರವಾಧಿಗಳ ವಚನಗಳನ್ನಾಗಲಿ ತೆಗೆದುಹಾಕುವದಕ್ಕೆ
ನಾನು ಬಂದೆನೆಂದು ನೆನಸಬೇಡಿರಿ. ತೆಗೆದುಹಾಕುವದಕ್ಕೆ ಬಂದಿಲ್ಲ ನೆರವೇರಿಸುವದಕ್ಕೆ
ಬಂದಿದ್ದೇನೆ. [೧೮] ನಿಮಗೆ ಸತ್ಯವಾಗಿ ಹೇಳುತ್ತೇನೆ. ಆಕಾಶವೂ ಭೂಮಿಯೂ ಅಳಿದುಹೋಗುವ
ತನಕ ಧರ್ಮಶಾಸ್ತ್ರವೆಲ್ಲಾ ನೆರವೇರಿದ ಹೊರತು ಅದರೊಳಗಿಂದ ಒಂದು ಸೊನ್ನೆಯಾದರೂ ಒಂದು
ಗುಡುಸಾದರೂ ಅಳಿದುಹೋಗಲಾರದು. [೧೯] ಆದದರಿಂದ ಈ ಸಣ್ಣ ಸಣ್ಣ ಆಜ್ಞೆಗಳಲ್ಲಿಯಾದರೂ
ಒಂದನ್ನು ಮೀರಿಜನರಿಗೂ ಹೆಗೆ ಮೀರುವದಕ್ಕೆ ಭೋಧಿಸುವವನು ಪರಲೋಕ ರಾಜ್ಯದಲ್ಲಿ ಬಹಳ
ಚಿಕ್ಕವನೆನಿಸಿಕೊಳ್ಳುವನು. ಆದರೆ ಲಾನೇ ಆ ಆಜ್ಞೆಗಳಂತೆ ನಡೆದುಕೊಂಡು ಜನರಿಗೂ ಹಾಗೆ
ನಡೆಯಬೇಕೆಂದು ಬೋಧಿಸುವವನು ಪರಲೋಕ ರಾಜ್ಯದಲ್ಲಿ ದೊಡ್ಡವನೆನಿಸಿಕೊಳ್ಳುವನು.
[೨೦] ನಿಮ್ಮ ನೀತಿಯು ಶಾಸ್ತ್ರೀ ಮತ್ತು ಫರಿಸಾಯರ ನೀತಿಗಿಂತಲೂ ಹೆಚ್ಚಿನದಾಗದಿದ್ದರೆ ನೀವು
ಪರಲೋಕರಾಜ್ಯದಲ್ಲಿ ಸೇರಲಾರಿರಿ ಎಂದು ನಿಮಗೆ ಹೇಳುತ್ತೇನೆ. [೨೧ನರಹತ್ಯ] ಮಾಡಬಾರದು
ನರಹತ್ಯ ಮಾಡುವವನು ನ್ಯಾದವಿಚಾರಣೆಗೆ ಗುರಿಯಾಗುವನೆಂದು ಹಿರಿಯರಿಗೆ ಹೇಳಿಯದೆ

ಎಂದು ಕೇಳಿದ್ದೀರಷ್ಟೆ. ೨೨ ಆದರೆ ನಾನು ನಿಮಗೆ ಹೇಳುವದೇನಂದರೆ – ತನ್ನ ಸಹೋದರನ
ಮೇಲೆ ಸಿಟ್ಟುಗೊಳ್ಳುವ ಪ್ರತಿ ಮನುಷ್ಯನು ನ್ಯಾಯವಿಚಾರಣೆಗೆ ಗುರಿಯಾಗುವನು. ತನ್ನ
ಸಹೋದರನನ್ನು ನೋಡಿ – ಛೀ ನೀಚಾ ಅನ್ನುವವನು ನ್ಯಾಯ ಸಭೆಯ ವಿಚಾರಣೆಗೆ
ಒಳಗಾಗುವನು ಮುರ್ಖಾ ಅನ್ನುವವನು ಅಗ್ನಿನರಕಕ್ಕೆ ಗುರಿಯಾಗುವನು. ೨೩ ಆದಕಾರಣ ನೀನು
ನಿನ್ನ ಕಾಣಿಕೆಯನ್ನು ಯಜ್ಞವೇದಿಯ ಹತ್ತಿರಕ್ಕೆ ತಂದಾಗ ನಿನ್ನ ಸಹೋದರನ ಮನಸ್ಸಿನಲ್ಲಿ ನಿನ್ನ
ಮೇಲೆ ಏನೊ ವಿರೋಧವದೆ ಎಂಬದು ನಿನ್ನ ನೆನಪಿಗೆ ಬಂದರೆ. ೨೪ ನಿನ್ನ ಕಾಣಕೆಯನ್ನು ಆ
ಯಜ್ಞವೇದಿಯ ಮುಂದೆಯೇ ಬಿಟ್ಟು ಹೋಗಿ ಮೊದಲು ನಿನ್ನ ಸಹೋದರನ ಸಂಗಡ ಒಂದಾಗು
ಆ ಮೇಲೆ ಬಂದು ನಿನ್ನ ಕಾಣಿಕೆಯನ್ನು ಕೊಡು.

೨೫ ನಿನ್ನ ವಾದಿಯ ಸಂಗಡ ಇನ್ನೂ ದಾರಿಯಲ್ಲಿರುವಾಗಲೇ ಅವನ ಕೂಡ ಬೇಗ
ಸಮಾದಾನ ಮಾಡಿಕೋ ಇಲ್ಲದಿದ್ದರೆ ಆ ವಾದಿಯು ನಿನ್ನನ್ನು ನ್ಯಾಯಾದಿಪತಿಗೆ ಒಪ್ಪಿಸಾನು
ನ್ಯಾಯಾದಿಪತಿಯು ನಿನ್ನನ್ನು ಓಲೇಕಾರನ ಕೈಗೆ ಒಪ್ಪಿಸಿಕೊಟ್ಟಾನು. ಆಗ ನೀನು ಸೆರೆಯಲ್ಲಿ
ಬಿದ್ದೀಯೆ. ೨೬ ನೀನು ಒಂದು ಕಾಸನ್ನಾದರೂ ನಿಲ್ಲಿಸಿಕೊಳ್ಳದೆ ಎಲ್ಲಾ ಸಲ್ಲಿಸುವ ತನಕ ಅಲ್ಲಿಂದ
ಬರುವದೇ ಇಲ್ಲ ಎಂದು ನಿನಗೆ ಸತ್ಯವಾಗಿ ಹೇಳುತ್ತೇನೆ.

೨೭ ವ್ಯಬಿಚಾರ ಮಾಡಬಾರದೆಂದು ಹೇಳಯದೆ ಎಂಬದಾಗಿ ನೀವು ಕೇಳಿದ್ದೀರಷ್ಟೆ. ೨೮ ಆದರೆ
ನಾನು ನಿಮಗೆ ಹೇಳುವದೇನಂದರೆ – ಪರಸ್ತ್ರೀಯನ್ನು ನೋಡಿ ಮೋಹಿಸುವ ಪ್ರತಿ ಮನುಷ್ಯನು
ಆಗಲೇ ತನ್ನ ಮನಸ್ಸಿನಲ್ಲಿ ಆಕೆಯ ಕೂಡ ವ್ಯಬಿಚಾರ ಮಾಡಿದವನಾದನು. ೨೯ ನಿನ್ನ ಬಲಗಣ್ಣು
ನಿನ್ನನ್ನು ಪಾಪದಲ್ಲಿ ಸಿಕ್ಕಿಸುವದಾದರೆ ಅದನ್ನು ಕಿತ್ತು ಬಿಸಾಟುಬಿಡು, ನಿನ್ನ ದೇಹವೆಲ್ಲಾ
ನರಕದಲ್ಲಿ ಬೀಳುವದಕ್ಕಿಂತ ಅವಯವಗಳಲ್ಲಿ ಒಂದು ಹೋಗುವದು ನಿನಗೆ ಹಿತವಲ್ಲವೇ.
೩೦ ನಿನ್ನ ಬಲಗೈ ನಿನ್ನನ್ನು ಪಾಪದಲ್ಲಿ ಸಿಕ್ಕಿಸುವದಾದರೆ ಅದನ್ನು ಕಡಿದು . ಬಿಸಾಟುಬಿಡು,
ನಿನ್ನ ದೇಹವೆಲ್ಲಾ ನರಕದಲ್ಲಿ ಬೀಳುವದಕ್ಕಿಂತ ಅವಯವಗಳಲ್ಲಿ ಒಂದು ಹೋಗುವದು ನಿನಗೆ
ಹಿತವಲ್ಲವೇ. ೩೧ ಇದಲ್ಲದೆ ತನ್ನ ಹೆಂಡತಿದನ್ನು ಬಿಟ್ಟುಬಡುವವನು ಆಕೆಗೆ ತ್ಯಾಗಪತ್ರವನ್ನು
ಕೊಡತಕ್ಕದ್ದೆಂದು ಹೇಳಿಯದೆಯಷ್ಟೆ. ೩೨ ಆದರೆ ನಾನು ನಿಮಗೆ ಹೇಳುವದೇನಂದರೆ –
ಹಾದರದ ಕಾರಣದಿಂದಲ್ಲದೆ ತನ್ನ ಹೆಂಡತಿಯನ್ನು ಬಿಟ್ಟು ಬಿಡುವವನು ಅವಳು ವ್ಯಬಿಚಾರ
ಮಾಡುವದಕ್ಕೆ ಕಾರಣನಾಗುತ್ತಾನೆ. ಮತ್ತು ಗಂಗ ಬಿಟ್ಟವಳನ್ನು ಮದುವೆಮಾಡಿಕೊಳ್ಳುವವನು
ವ್ಯಬಿಚಾರಮಾಡಿದವನಾಗಿದ್ದಾನೆ.

೩೩ ಮತ್ತು ನೀನು ಸುಳ್ಳಣೆಯಿಡಬಾರದು ನೀನು ಇಟ್ಟುಕೊಂಡ ಆಣೆಗಳನ್ನು ಕರ್ತನಿಗೆ
ಸಲ್ಲಿಸಬೇಕೆಂದು ಹಿರಿಯರಿಗೆ ಹೇಳಿದೆ ಎಂದು ಕೇಳಿದ್ದೀರಷ್ಟೆ. ೩೪ ಆದರೆ ನಾನು ನಿಮಗೆ
ಹೇಳುವದೇನಂದರೆ, ಆಣೆಯನ್ನೇ ಇಡಬೇಡ. ಆಕಾಶದ ಮೇಲೆ ಆಣೆ ಇಡಬೇಡ ಅದು
ದೇವರ ಸಿಂಹಾಸನವು. ೩೫ ಭೂಮಿಯ ಮೇಲೆ ಆಣೆ ಇಡಬೇಡ ಅದು ಆತನ ಪಾದಪೀಠವು
ಯೆರೂಸಲೇಮಿನ ಮೇಲೆ ಆಣೆ ಇಡಬೇಡ ಅದು ಆ ದೊಡ್ಡ ಅರಸನ ಪಟ್ಟಣವಾಗಿದೆ. ೩೬ ನಿನ್ನ
ತಲೆಯ ಮೇಲೆ ಕೂಡ ಆಣೆ ಇಡಬೇಡ ನೀನು ಒಂದು ಕೂದಲನ್ನಾದರೂ ಬೆಳ್ಳಗೆ ಅಥವಾ ಕರ್‍ರಗೆ
ಮಾಡಲಾರಿ. ೩೭ ಆದರೆ ನಿಮ್ಮ ಮಾತು ಹೌದಾದರೆ ಹೌದು ಅಲ್ಲವಾದರೆ ಅಲ್ಲ ಎಂದಿರಲಿ. ಇದಕ್ಕಿಂತ
ಹೆಚ್ಚಾದದ್ದು ಸೈತಾನನಿಂದ ಬಂದದ್ದು.

೩೮ ಕಣ್ಣಿಗೆ ಪ್ರತಿಯಾಗಿ ಕಣ್ಣು ಹಲ್ಲಿಗೆ ಪ್ರತಿಯಾಗಿ ಹಲ್ಲನ್ನು ತೆಗೆಸು ಅಂತ ಹೇಳಿಯದೆ ಎಂದು
ಕೇಖಿದ್ದಿರಷ್ಟೆ. ೩೯ ಆದರೆ ನಾನು ನಿಮಗೆ ಹೇಳುವದೇನಂದರೆ – ಕೆಡುಕನನ್ನು ಎದುರಿಸಬೇಡ.
ಒಬ್ಬನು ನಿನ್ನ ಬಲಗೆನ್ನೆಯ ಮೇಲೆ ಹೊಡೆದರೆ ಅವನಿಗೆ ನಿನ್ನ ಮತ್ತೊಂದು ಕೆನ್ನೆಯನ್ನು
ಒಡ್ಡು. ೪೦ ನಿನ್ನ ಸಂಗಡ ವ್ಯಾಜ್ಯವಾಡಿ ನಿನ್ನ ಒಳಮಗಿಯನ್ನು ತಕ್ಕೊಳ್ಳಬೇಕೆಂದಿರುವವನಿಗೆ
ಮೇಲಂಗಿಯನ್ನೂ ಬಿಡು ೪೧ ಒಬ್ಬನು ಒಂದು ಮೈಲು ದೂರ ಬಾ ಎಂದು ನಿನ್ನನ್ನು ಬಿಟ್ಟೀ ಹಿಡಿದರೆ
ಅವನ ಸಂಗಡ ಎರಡು ಮೈಲು ಹೋಗು. ೪೨ ನಿನ್ನನ್ನು ಬೇಡುವವನಿಗೆ ಮುಖತಿರುವಿಕೊಳ್ಳಬೇಡ.

೪೩ ನಿನ್ನ ನೆರೆಯವನನ್ನು ಪ್ರೀತಿಸಿ ನಿನ್ನ ವೈರಿಯನ್ನು ಹಗೆಮಾಡಬೇಕೆಂದು ಹೇಳಿಯದೆ
ಎಂಬದಾಗಿ ಕೆಳಿದ್ದೀರಷ್ಟೆ. ೪೪ ಆದರೆ ನಾನು ನಿಮಗೆ ಹೇಳುವದೇನಂದರೆ – ನಿಮ್ಮ
ವೈರಿಗಳನ್ನು ಪ್ರೀತಿಸಿರಿ. ನಿಮ್ಮನ್ನು ಹಿಂಸೆಪಡಿಸುವವರಿಗೊಸ್ಕರ ದೇವರನ್ನು ಪ್ರಾರ್ಥಿಸಿರಿ.
೪೫ ಹೀಗೆ ಮಾಡಿದರೆ ನೀವು ಪರಲೋಕದಲ್ಲಿರುವ ನಿಮ್ಮ ತಂದೆಗೆ ಮಕ್ಕಳಾಗುವಿರಿ.
ಆತನು ಕೆಟ್ಟವರ ಮೇಲೆಯೂ ಒಳ್ಳೇಯವರ ಮೇಲೆಯೂ ತನ್ನ ಸೂರ್ಯನು ಮೂಡುವಂತೆ
ಮಾಡುತ್ತಾನೆ. ನೀತಿವಂತರ ಮೇಲೆಯೂ ಅನೀತಿವಂತರ ಮೇಲೆಯೂ ಮಳೆ ಸುರಿಸುತ್ತಾನೆ.
೪೬ ನಿಮಗೆ ಪ್ರೀತಿ ತೋರಿಸುವವರನ್ನೇ ನೀವು ಪ್ರೀತಿಸಿದರೆ ಫಲವೇನು? ಭ್ರಷ್ಟರೂ ಹಾಗೆ

ಮಾಡುವದಿಲ್ಲವೇ. ೪೭ ನಿಮ್ಮ ಸಹೋದರರಿಗೆ ಮಾತ್ರ ನೀವು ಮರ್ಯಾದೆ ಕೊಟ್ಟರೆ ಏನು
ಹೆಚ್ಚು ಮಾಡಿದ ಹಾಗಾಯಿತು?ಅನ್ಯ ಜನರು ಸಹ ಹಾಗೆ ಮಾಡುವದಿಲ್ಲವೇ. ೪೮ ಆದದರಿಂದ
ಪರಲೋಕದಲ್ಲಿರುವ ನಿಮ್ಮ ತಂದೆಯು ಯಾವ ದೋಷವೂ ಇಲ್ಲದವನಾಗಿರುವಂತರ ನೀವೂ
ದೋಷವಿಲ್ಲದವರಾಗಿರ್ರಿ

೬ ೧ ಜನರು ನೋಡಲಿ ಎಂದು ನಿಮ್ಮ ಧರ್ಮಕಾರ್ಯಗಳನ್ನು ಮಾಡಬಾರದು ನೋಡಿರಿ ಹಾಗೆ
ಮಾಡಿದರೆ ಪರಲೋಕದರುವ ನಿಮ್ಮ ತಂದೆಯ ಹತ್ತಿರ ನಿಮಗೆ ಫಲದೊರೆಯದು.
೨ ಆದದರಿಂದ ನೀನು ಧರ್ಮಕೊಡುವಾಗ ನಿನ್ನ ಮೊಂದೆ ಕೊಂಬೂದಿಸಬೇಡ. ಜನರಿಂದ
ಹೊಗಳಿಕೊಳ್ಳಬೇಕೆಂದು ಕಪಟಿಗಳು ಸಭೆಮಂದಿರಗಳಲ್ಲಿಯೂ ಬೀದಿಗಳಲ್ಲಿಯೂ ಹಾಗೆ
ಮಾಡುತ್ತಾರೆ.ಅವರು ತಮಗೆ ಬರತಕ್ಕ ಫಲವನ್ನು ಹೊಂದಿದ್ದಾಯಿತೆಂದು ನಿಮಗೆ ಸತ್ಯವಾಗಿ
ಹೇಳುತ್ತೇನೆ. ೩ ನೀನಾದರೆ ಧರ್ಮ ಕೊಡುವಾಗ ನೀನು ಧರ್ಮಕೊಟ್ಟದ್ದು ಅಂತರಂಗವಾಗುವ
ಹಾಗೆ ನಿನ್ನ ಬಲಗೈ ಮಾಡಿದ್ದು ಎಡಗೈಗೂ ತಿಳಿಯದಿರಲಿ. ೪ ಅಂತರಂಗದಲ್ಲಿ ನಡೆಯುವದನ್ನು
ನೋಡುವ ನಿನ್ನ ತಂದೆಯು ನಿನಗೆ ಫಲಕೊಡುವನು.
೫ ಮತ್ತು ನೀವು ಪ್ರಾರ್ಥನೆ ಮಾಡುವಾಗ ಕಪಟಿಗಳ ಹಾಗೆ ಮಾಡಬೇಡಿರಿ. ಜನರು
ನೋಡಬೇಕೆಂದು ಅವರು ಸಭಾಮಂದಿರಗಳಲ್ಲಯೂ ಬೀದೀಚೌಕಗಳಲ್ಲಿಯೂ
ನಿಂತುಕೊಂಡು ಪ್ರಾರ್ಥನೆ ಮಾಡುವದಕ್ಕೆ ಇಷ್ಟಪಡುತ್ತಾರೆ. ಅವರು ತಮಗೆ ಬರತಕ್ಕ
ಫಲವನ್ನು ಹೊಂದಿದ್ದಾಯಿತೆಂದು ನಿಮಗೆ ಸತ್ಯವಾಗಿ ಹೇಳುತ್ತೇನೆ. ೬ ನಿನ್ನ ಏಕಾಂತವಾದ
ಕೋಣೆಯೊಳಗೆ ಹೋಗಿ ಬಾಗಲನ್ನು ಮುಚ್ಚಿಕೊಂಡು ಅಂತರಂಗದಲ್ಲಯೂ ಇರುವ ನಿನ್ನ
ತಂದೆಗೆ ಪ್ರಾರ್ಥನೆ ಮಾಡು. ಅಂತರಂಗದಲ್ಲಿ ನಡೆಯುವದನ್ನು ನೋಡುವ ನಿನ್ನ ತಂದೆಯುನಿನಗೆ
ಫಲಕೊಡುವನು. ೭ ಆದರೆ ಪ್ರಾರ್ಥನೆಮಾಡುವಾಗ ಅಜ್ಞಾನಿಗಳ ಹಾಗೆ ಹೇಳಿದ್ದನ್ನೇ ಸುಮ್ಮ
ಸುಮ್ಮನೆ ಹೇಳಬೇಡ. ಅವರು ಬಹಳ ಮಾತುಗಳನ್ನಾಡಿದರೆ ತಮ್ಮ ಪ್ರಾರ್ಥನೆಯನ್ನು ದೇವರು
ಕೇಳುತ್ತನೆಂದು ನೆನಸುತ್ತಾರೆ. ೮ ಆದದರಿಂದ ನೀವು ಅವರ ಹಾಗೆ ಆಗಬೇಡಿರಿ. ನೀವು ನಿಮ್ಮ
ತಂದೆಯನ್ನು ಬೇಡಿಕೊಳ್ಳುವದಕ್ಕಿಂತ ಮುಂಚೆಯೇ ನಿಮಗೆ ಏನೇನು ಅಗತ್ಯವೆಂಬದು ಆತನಿಗೆ
ತಿಳಿದದೆ. ೯ ಆದದರಿಂದ ನೀವು ಹೀಗೆ ಪ್ರಾರ್ಥನೆಮಾಡತಕ್ಕದ್ದು.- ೧೦ ಪರಲೋಕದಲ್ಲರುವ ನಮ್ಮ
ತಂದೆಯೇ ನಿನ್ನ ನಾಮವು ಪರಿಶುದ್ದವೆಂದು ಎಣಿಸಲ್ಪಡಲಿ. ನಿನ್ನ ರಾಜ್ಯವು ಬರಲಿ. ನಿನ್ನ ಚಿತ್ತವು
ಪರಲೋಕದಲ್ಲಿನೆರವೇರುವ ಪ್ರಕಾರ ಭೂಲೋಕದಲ್ಲಿಯೂ ನೆರವೇರಲಿ ೧೧ ನಮ್ಮ ಅನುದಿನದ
ಆಹಾರವನ್ನು ಈ ಹೊತ್ತು ದಯಪಾಲಿಸು ೧೨ ನಮಗೆ ತಪ್ಪು ಮಾಡಿದವರನ್ನು ನಾವು ಕ್ಷಮಿಸಿದಂತೆ
ನಮ್ಮ ತಪ್ಪುಗಳನ್ನು ಕ್ಷಮಿಸು. ೧೩ ನಮ್ಮನ್ನು ಶೋಧನೆಯೊಳಗೆ ಸೇರಿಸದೆ ಕೇಡಿನಿಂದ ನಮ್ಮನ್ನು
ತಪ್ಪಿಸು ೧೪ ನೀವು ಜನರ ತಪ್ಪುಗಳನ್ನು ಕ್ಷಮಿಸಿದರೆ ಪರಲೋಕದಲ್ಲಿರುವ ನಿಮ್ಮ ತಂದಯು ನಿಮ್ಮ
ತಪ್ಪುಗಳನ್ನೂ ಕ್ಷಮಿಸುವನು. ೧೫ ಆದರೆ ನೀವು ಜನರ ತಪ್ಪುಗಳನ್ನು ಕ್ಷಮಿಸದೆ ಹೋದರೆ ನಿಮ್ಮ
ತಂದೆ ಸಹ ನಿಮ್ಮ ತಪ್ಪುಗಳನ್ನು ಕ್ಷಮಿಸುವದಿಲ್ಲ. ೧೬ ಇದಲ್ಲದೆ ನೀವು ಉಪವಾಸ ಮಾಡುವಾಗ
ಕಪಟಿಗಳಂತೆ ಮುಖವನ್ನು ಸಪ್ಪಗೆ ಮಾಡಿಕೊಳ್ಳಬೇಡಿರಿ. ಅವರು ತಾವು ಉಪವಾಸಿಗಳೆಂದು
ಜನರಿಗೆ ತೋರಿಬರುವದಕ್ಕಾಗಿ ತಮ್ಮ ಮುಖವನ್ನು ವಿಕಾರಿಮಾಡಿಕೊಳ್ಳುತ್ತಾರೆ .ಅವರು
ತಮಗೆ ಬರತಕ್ಕ ಫಲವನ್ನು ಹೊಂದಿದ್ದಾಯಿತೆಂದು ನಿಮಗೆ ಸತ್ಯವಾಗಿ ಹೇಳುತ್ತೇನೆ. ೧೭ ಆದರೆ
ನೀನು ಉಪವಾಸ ಮಾಡುವಾಗ ತಲೆಗೆ ಎಣ್ಣೆ ಹಚ್ಚಿಕೊಂಡು ಮುಖವನ್ನು ತೊಳಕೋ. ೧೮ ಹೀಗೆ
ಮಾಡಿದರೆ ನೀನು ಉಪವಾಸಿಯೆಂದು ಜನರಿಗೆ ಕಾಣದೆ ಹೊದಾಗ್ಯೂ ಅಂತರಂಗದಲ್ಲಿರುವ
ನಿನ್ನ ತಂದೆಗೆ ಉಪವಾಸಿಯೆಂದು ಕಾಣಿಸಿಕೊಳ್ಳುವಿ. . ಅಂತರಂಗದಲ್ಲಿ ನಡೆಯುವದನ್ನು
ನೋಡುವ ನಿನ್ನ ತಂದೆಯು ನಿನಗೆ ಫಲಕೊಡುವನು.
೧೯ ಭೂಲೋಕದಲ್ಲಿ ಗಂಟು ಮಾಡಿ ಇಟ್ಟುಕೊಳ್ಳಬೇಡಿರಿ. ಇಲ್ಲಿ ಅಂತೂ ಅದು ನುಸಿಹಿಡಿದು
ಕಿಲುಬು ಹತ್ತಿ ಕೆಟ್ಟುಹೋಗುವದು. ಇಲ್ಲಿ ಕಳ್ಳರು ಕನ್ನಾಕೊರೆದು ಕದಿಯುವರು. ೨೦ ಆದರೆ
ಪರಲೋಕದಲ್ಲಿ ಗಂಟು ಮಾಡಿ ಇಟ್ಟುಕೊಳ್ಳಿರಿ ಅಲ್ಲಿ ಅದು ನುಸಿಹಿಡಿದು ಕಿಲುಬು ಹತ್ತಿ ಕೆಟ್ಟು
ಹೋಗುವದಿಲ್ಲ. ಅಲ್ಲಿ ಕಳ್ಳರು ಕನ್ನಾ ಕೊರೆಯುವದೂ ಇಲ್ಲ. ಕದಿಯುವದೂ ಇಲ್ಲ. ೨೧ ನಿನ್ನ ಗಂಟು
ಇದ್ದಲ್ಲಿಯೇ ನಿನ್ನ ಮನಸ್ಸೂ ಇರುವದಷ್ಟೆ. ೨೨ ಕಣ್ಣು ದೇಹಕ್ಕೆ ದೀಪವಾಗಿದೆ ಹೀಗಿರುವದರಿಂದ
ನಿನ್ನ ಕಣ್ಣು ನೆಟ್ಟಗಿದ್ದರೆ ನಿನ್ನ ದೇಹವೆಲ್ಲಾ ಬೆಳಕಾಗಿರುವದು. ೨೩ ನಿನ್ನ ಕಣ್ಣು ಕೆಟ್ಟದ್ದಾಗಿದ್ದರೆ
ನಿನ್ನ ದೇಹವೆಲ್ಲಾ ಕತ್ತಲಾಗುವದು. ಹಾಗಾದರೆ ನಿನ್ನೊಳಗಿರುವ ಬೆಳಕೇ ಕತ್ತಲಾದರೆ ಆ ಕತ್ತಲು
ಎಷ್ಟೆನ್ನಬೇಕು.

೨೪ ಯಾವನು ಇಬ್ಬರು ಯಜಮಾನರಿಗೆ ಸೇವೆಮಾಡಲಾರನು. ಅವನು ಒಬ್ಬನನ್ನು ದ್ವೇಷಿಸಿ
ಮತ್ತೊಬ್ಬನನ್ನು ಪ್ರೀತಿಸುವನು ಇಲ್ಲವೆ ಒಬ್ಬನನ್ನು ಹೊಂದಿಕೊಂಡು ಮತ್ತೊಬ್ಬನನ್ನು ತಾತ್ಸಾರ
ಮಾಡುವನು. ನೀವು ದೇವರನ್ನೂ ಧನವನ್ನೂ ಕೂಡ ಸೇವಿಸಲಾರಿರಿ. ೨೫ ಈ ಕಾರಣದಿಂದ –
ನಮ್ಮ ಪ್ರಾಣಧಾರಣೆಗೆ ಏನು ಊಟಮಾಡಬೇಕು ಏನು ಕುಡುಯಬೇಕು ನಮ್ಮ ದೇಹರಕ್ಷಣೆಗೆ
ಏನು ಹೊದ್ದುಕೊಳ್ಳಬೇಕು ಎಂದು ಚಿಂತೆ ಮಾಡಬೇಡಿರಿ ಎಂಬದಾಗಿ ನಿಮಗೆ ಹೇಳುತ್ತೇನೆ.
ಊಟಕ್ಕಿಂತ ಪ್ರಾಣವು ಉಡುಪಿಗಿಂತ ದೇಹವು ಮೇಲಾದದ್ದಲ್ಲವೇ. ೨೬ ಆಕಾಶದಲ್ಲಿ
ಹಾರಾಡುವ ಹಕ್ಕಿಗಳನ್ನು ನೋಡಿರಿ ಅವು ಬಿತ್ತುವದಿಲ್ಲ ಕೊಯ್ಯುವದಿಲ್ಲ ಕಣಜಗಳಲ್ಲಿ
ತುಂಬಿಟ್ಟುಕೊಳ್ಳುವದಿಲ್ಲ. ಆದಾಗ್ಯೂ ಪರಲೋಕದಲ್ಲಿರುವ ನಿಮ್ಮ ತಂದೆಯು ಅವುಗಳನ್ನು
ಸಾಕಿ ಸಲಹುತ್ತಾನೆ. ಅವುಗಳಿಗಿಂತ ನೀವು ಹೆಚ್ಚಿನವರಲ್ಲವೋ? ೨೭ ಚಿಂತೆಮಾಡಿ ಒಂದು
ಉದ್ದ ಬೆಳೆಯುವದು ನಿಮ್ಮಲ್ಲಿ ಯಾರಿಂದಾದೀತು. ೨೮ ಇದಲಚಲದೆ ನೀವು ಉಡುಪಿನ
ವಿಷಯದಲ್ಲಿಇಂತೆಮಾಡುವದೇಕೆ?ಅಡವಿಯ ಹೂಗಳು ಬೆಳೆಯುವ ರೀತಿಯನ್ನು
ಯೋಚಿಸಿ ತಿಳಿಯಿರಿ, ಅವು ದುಡಿಯುವದಿಲ್ಲ ನೂಲುವದಿಲ್ಲ. ೨೯ ಆದಾಗ್ಯೂ ಈ
ಹೂವುಗಳಲ್ಲಿ ಒಂದಕ್ಕಿರುವಷ್ಟು ಅಲಂಕಾರವು ಅರಸನಾದ ಸೊಲೊಮೋಣಿಗೆ ಸಹ ಅವನು
ತನ್ನ ಸಕಲ ವೈಭವದಿಂದಿರುವಾಗಲೂ ಇರಲಿಲ್ಲವೆಂದು ನಿಮಗೆ ಹೇಳುತ್ತೇನೆ. ೩೦ ಎಲೈ ಅಲ್ಪ
ವಿಶ್ವಾಸಿಗಳೇ ಈಉಓತ್ತು ಇದ್ದು ನಾಳೆ ಒಲೆಯ ಪಾಲಾಗುವ ಅಡವಿಯ ಹುಲ್ಲಿಗೆ ದೇವರು
ಹೀಗೆ ಉಡಿಸಿದರೆ ಅದಕ್ಕಿಂತ ಎಷ್ಟೋ ಹೆಚ್ಚಾಗಿ ನಿಮಗೆ ಉಡಿಸಿ ತೊಡಿಸುವನಲ್ಲವೇ .
೩೧ ಹೀಗಿರುವದರಿಂದ ಏನು ಊಟಮಾಡಬೇಕು ಏನು ಕುಡಿಯಬೇಕು ಏನು ಹೊದ್ದುಕೊಳ್ಳಬೇಕು
ಎಂದು ಚಿಂತೆ ಮಾಡಬೇಡಿರಿ. ೩೨ ಇವೆಲ್ಲವುಗಳಿಗಾಗಿ ಅಜ್ಞಾನಿಗಳು ತವಕಪಡುತ್ತಾರೆ.
ಇದೆಲ್ಲಾ ನಿಮಗೆ ಬೇಕಾಗಿದೆ ಎಂದು ಪರಲೋಕದಲ್ಲಿರುವ ನಿಮ್ಮ ತಂದೆಗೆ ತಿಳಿದಿದೆಯಷ್ಟೆ.
೩೩ ಹೀಗಿರುವದರಿಂದ ನೀವು ಮೊದಲು ದೇವರ ರಾಜ್ಯಕ್ಕಾಗಿಯೂ ನೀತಿಗಾಗಿಯೂ
ತವಕಪಡಿರಿ. ಇವುಗಳ ಕೂಡ ಅವೆಲ್ಲವೂ ನಿಮಗೆ ದೊರಕುವವು. ೩೪ ಆದದರಿಂದ ನಾಳಿನ
ವಿಷಯವಾಗಿ ಚಿಂತೆ ಮಾಡಬೇಡಿರಿ. ನಾಳಿನ ದಿನವು ತನ್ನದನ್ನು ತಾನೇ ಚಿಂತಿಸಿಕೊಳ್ಳುವದು.
ಆ ಹೊತ್ತಿನ ಕಾಟ ಆ ಹೊತ್ತಿಗೆ ಸಾಕು.

೭ ೧ ತೀರ್ಪು ಮಾಡಬೇಡಿರಿ ಹಾಗೆ ನಿಮಗೂ ತೀರ್ಪಾಗಿವದಿಲ್ಲ. ೨ ನೀವು ಮಾಡುವ
ತೀರ್ಪಿಗೆ ಸರಿಯಾಗಿ ನಿಮಗೂ ತೀರ್ಪಾಗುವದು. ನೀವು ಅಳೆಯುವ ಅಳತೆಯಿಂದಲೇ
ನಿಮಗೂ ಅಳೆಯುವರು. ೩ ನೀನು ನಿನ್ನ ಕಣ್ಣಿನಲ್ಲಿರುವ ತೊಲೆಯನ್ನು ಯೋಚಿಸದೆ ನಿನ್ನ
ಸಹೋದರನ ಕಣ್ಣಿನಲ್ಲಿರುವ ರವೆಯನ್ನು ಯೋಚಿಸುವದೇಕೆ? ೪ ನೀನು ನಿನ್ನ ಸಹೋದರನಿಗೆ
– ನಿನ್ನ ಕಣ್ಣಿನೊಳಗಿಂದ ರವೆಯನ್ನು ತೆಗೆಯುತ್ತೇನೆ ಬಾ ಎಂದು ಹೇಳುವದು ಹೇಗೆ? ನಿನ್ನ
ಕಣ್ಣಿನಲ್ಲಿ ತೊಲೆಯಿದೆಯಲ್ಲಾ ೫ ಕಪಟಿಯೇ ಮೊದಲು ನಿನ್ನ ಕಣ್ಣಿನೊಳಗಿಂದ ತೊಲೆಯನ್ನು
ತೆಗೆದುಹಾಕಿಕೋ. ಆಮೇಲೆ ನಿನ್ನ ಸಹೋದರನ ಕಣ್ಣಿನೊಳಗಿಂದ ರವೆಯನ್ನು ತೆಗೆಯುವದಕ್ಕೆ
ಚೆನ್ನಾಗಿ ಕಾಣಿಸುವದು.

೬ ದೇವರ ವಸ್ತುಗಳನ್ನು ನಾಯಿಗಳಿಗೆ ಹಾಕಬೇಡಿರಿ. ನಿಮ್ಮ ಮುತ್ತುಗಳನ್ನು ಹಂದಿಗಳ ಮುಂದೆ
ಚೆಲ್ಲಬೇಡಿರಿ.ಚೆಲ್ಲಿದರೆ ತಮ್ಮ ಕಾಲಿನಿಂದ ಅವುಗಳನ್ನು ತುಳಿದು ಹಿಂತಿರುಗಿ ಬಂದು ನಿಮ್ಮನ್ನು
ಸೀಳಿಬಿಟ್ಟಾವು.

೭ ಬೇಡಿಕೊಳ್ಳಿರಿ ನಿಮಗೆ ದೊರೆಯುವದು. ಹುಡುಕಿರಿ ನಿಮಗೆ ಸಿಕ್ಕುವದು. ತಟ್ಟಿರಿ
ನಿಮಗೆ ತೆರೆಯುವದು. ೮ ಯಾಕಂದರೆ ಬೇಡಿಕೊಳ್ಳುವ ಪ್ರತಿಯೊಬ್ಬನು ಹೊಂದುವನು
ಹುಡುಕುವವನಿಗೆ ಸಿಕ್ಕುವದು. ತಟ್ಟುವವನಿಗೆ ತೆರೆಯುವದು. ೯ ನಿಮ್ಮಲ್ಲಿ ಯಾವನಾದರೂ
ರೊಟ್ಟಿ ಕೇಳುವ ಮಗನಿಗೆ ಕಲ್ಲನ್ನು ಕೊಡುವನೇ? ೧೧. ಮೀನು ಕೇಳಿದರೆ ಹಾವನ್ನು ಕೊಡುವನೇ?
ಹಾಗಾದರೆ ಕೆಟ್ಟವರಾದ ನೀವು ನಿಮ್ಮ ಮಕ್ಕಳಿಗೆ ಒಳ್ಳೆಯ ಪದಾರ್ಥಗಳನ್ನು ಕೊಡಬಲ್ಲವರಾದರೆ
ಪರಲೋಕದಲ್ಲಿರುವ ನಿಮ್ಮ ತಂದೆಯು ತನ್ನನ್ನು ಬೇಡಿಕೊಳ್ಳುವವರಿಗೆ ಎಷ್ಟೋ ಹೆಚ್ಚಾಗಿ
ಒಳ್ಳೆಯ ವರಗಳನ್ನು ಕೊಡುವನಲ್ಲವೇ .

೧೨ ಅಂತು ಜನರು ನಿಮಗೆ ಏನೇನು ಮಾಡಬೇಕೆಂದು ಅಪೇಕ್ಷಿಸುತ್ತೀರೋ ಅದನ್ನೆ ನೀವು
ಅವರಿಗೆ ಮಾಡಿರಿ. ಇದೇ ಧರ್ಮಶಾಸ್ತ್ರದ ಮತ್ತು ಪ್ರವಾದಿಗಳ ತಾತ್ಪರ್ಯ.

೧೩ ಇಕ್ಕಟ್ಟಾದ ಬಾಗಲಿನಿಂದ ಒಳಕ್ಕೆ ಹೋಗಿರಿ. ನಾಶಕ್ಕೆ ಹೋಗುವ ಬಾಗಲು ದೊಡ್ಡದು
ದಾರಿ ಅಗಲವು ಅದರಲ್ಲಿ ಹೋಗುವವರು ಬಹು ಜನ, ೧೪ ನಿತ್ಯ ಜೀವಕ್ಕೆ ಹೋಗುವ ಬಾಗಲು
ಇಕ್ಕಟ್ಟು ದಾರಿ ಬಿಕ್ಕಟ್ಟು. ಅದನ್ನು ಕಂಡುಹಿಡಿಯುವವರು ಸ್ವಲ್ಪ ಜನ. ೧೫ ಸುಳ್ಳು ಪ್ರವಾದಿಗಳ

ವಿಷಯದಲ್ಲಿ ಎಚ್ಚರವಾಗಿರ್ರಿ ಅವರು ಕುರಿವೇಷ ಹಾಕಿಕೊಂಡು ನಿಮ್ಮ ಬಳಿಗೆ ಬರುತ್ತಾರೆ.
ಆದರೆ ಒಳಗೆ ನೋಡಿದರೆ ಅವರು ಬಡಕೊಂಡು ಹೋಗುವ ತೋಳಗಳೇ. ೧೬ ಅವರ ಫಲಗಳಿಂದ
ಅವರನ್ನು ತಿಳುಕೊಳ್ಳುವಿರಿ. ಮುಳ್ಳುಗಿಡಗಳಲ್ಲಿ ದ್ರಾಕ್ಷೇಹಣ್ಣುಗಳನ್ನೂ ಮದ್ದುಗುಣಿಕೆ ಗಿಡಗಳಲ್ಲಿ
ಅಂಜೂರಗಳನ್ನು ಕೊಯ್ಯುವದುಂಟೇ? ೧೭ ಹಾಗೆಯೇ ಒಳ್ಳೇ ಮರಗಳೆಲ್ಲಾ ಒಳ್ಳೇ ಫಲವನ್ನು
ಕೊಡುವವು. ಹುಳುಕು ಮರವು ಕೆಟ್ಟ ಫಲವನ್ನು ಕೊಡುವದು. ಒಳ್ಳೇ ಮರವು ಕೆಟ್ಟ ಫಲವನ್ನು
ಕೊಡಲಾರದು ೧೮ ಹುಳುಕು ಮರವು ಒಳ್ಳೇ ಫಲವನ್ನು ಕೊಡಲಾರದು. ೧೯ ಒಳ್ಳೇ ಫಲವನ್ನು ಕೊಡದ
ಎಲ್ಲಾ ಮರಗಳನ್ನು ಕಡಿದು ಬೆಂಕಿಯಲ್ಲಿ ಹಾಕುತ್ತಾರೆ. ೨೦ ಹೀಗಿರಲಾಗಿ ಅವರ ಫಲಗಳಿಂದಲೇ
ಅವರನ್ನು ತಿಳಿದುಕೊಳ್ಳುವಿರಿ.

೨೧ ನನ್ನನ್ನು ಸ್ವಾಮಿ ಸ್ವಾಮಿ ಅನ್ನುವವರೆಲ್ಲರು ಪರಲೋಕರಾಜ್ಯದಲ್ಲಿ ಸೇರುವರೆಂದು
ನೆನಸಬೇಡಿರಿ. ಪರಲೋಕದಲ್ಲಿರುವ ನನ್ನ ತಂದೆಯ ಚಿತ್ತದಂತೆ ನಡೆಯುವವನೇ
ಪರಲೋಕರಾಜ್ಯಕ್ಕೆ ಸೇರುವನು. ೨೨ ಸ್ವಾಮಿ ಸ್ವಾಮಿ ನಿನ್ನ ಹೆಸರಿನ ಮೇಲೆ ನಾವು ಬೋಧನೆ
ಹೇಳಲಿಲ್ಲವೇ? ನಿನ್ನ ಹೆಸರಿನ ಮೇಲೆ ದೆವ್ವಗಳನ್ನು ಬಿಡಿಸಲಿಲ್ಲವೇ? ನಿನ್ನ ಹೆಸರಿನ ಮೇಲೆ
ಅನೇಕ ಮಹತ್ಕಾರ್ಯಗಳನ್ನು ಮಾಡಲಿಲ್ಲವೇ?ಎಂದು ಆ ದಿನದಲ್ಲಿ ಎಷ್ಟೋ ಜನರು ನನಗೆ
ಹೇಳುವರು ೨೩ ಆಗ ನಾನು ಅವರಿಗೆ - ನೆನೆಂದೂ ನಿಮ್ಮ ಗುರುತು ಕಾಣೆನು. ಧರ್ಮವನ್ನು ಮೀರಿ
ನಡೆಯುವವರೇ ನನ್ನಿಂದ ತೊಲಗಿ ಹೋಗಿರಿ ಎಂದು ಎಲ್ಲರ ಮುಂದೆ ಹೇಳಿಬಿಡುವೆನು.

೨೪ ಆದದರಿಂದ ಈ ನನ್ನ ಮಾತುಗಳನ್ನು ಕೇಳಿ ಅವುಗಳಂತೆ ನಡೆಯುವವನು ಬಂಡೆಯ ಮೇಲೆ
ಮನೆಯನ್ನು ಕಟ್ಟಿಕೊಂಡ ಬುದ್ಧಿಯುಳ್ಳ ಮನುಷ್ಯನನ್ನು ಹೋಲುವನು. ೨೫ ಕಟ್ಟಿದ ಮೇಲೆ ಮಳೆ
ಸುರಿಯಿತು. ಹಳ್ಳಗಳು ಬಂದವು ನಾಲ್ಕು ಕಡೆಯಿಂದ ಗಾಳಿ ಬೀಸಿ ಆಮನೆಗೆ ಬಡಿಯಿತು.
ಆದಾಗ್ಯೂ ಅದರ ಅಸ್ತಿವಾರವು ಬಂಡೆಯ ಮೇಲಿದ್ದದರಿಂದ ಅದು ಬೀಳಲಿಲ್ಲ. ೨೬ ಆದರೆ
ನನ್ನ ಮಾತುಗಳನ್ನು ಕೇಳಿಯೂ ಅವುಗಳಂತೆ ನಡೆಯದ ಪ್ರತಿಯೊಬ್ಬನು ಉಸುಬಿನ ಮೇಲೆ
ಮನೆಯನ್ನು ಕಟ್ಟಿಕೊಂಡ ಬುದ್ಧಿಹೀನ ಮನುಷ್ಯನನ್ನು ಹೋಲುವನು.

೨೭ ಕಟ್ಟಿದ ಮೇಲೆ ಮಳೆ ಸುರಿಯಿತು. ಹಳ್ಳಗಳು ಬಂದವು ನಾಲ್ಕು ಕಡೆಯಿಂದ ಗಾಳಿ ಬೀಸಿ ಆ
ಮನೆಗೆ ಹೊಡೆಯಿತು ಆಗ ಅದು ಧಡಮ್ಮನೆ ಕಡಕೊಂಡು ಬಿತ್ತು.

೨೮ ಯೇಸು ಈ ಮಾತುಗಳನ್ನು ಮುಗಿಸಿದ ಮೇಲೆ ಆ ಜನರ ಗುಂಪುಗಳು ಆತನ ಉಪದೇಶಕ್ಕೆ
ಅತ್ಯಾಶ್ಚರ್ಯಪಟ್ಟವು. ೨೯ ಯಾಕಂದರೆ ಆತನು ಅವರ ಶಾಸ್ತ್ರಿಗಳಂತೆ ಉಪದೇಶಮಾಡದೆ
ಅಧಿಕಾರವಿದ್ದವನಂತೆ ಅವರಿಗೆ ಉಪದೇಶಮಾಡುತ್ತಿದ್ದನು.

೮ ೧ ಆತನು ಬೆಟ್ಟದಿಂದಿಳಿದು ಬರುವಾಗ ಜನರು ಗುಂಪು ಗುಂಪಾಗಿ ಆತನ ಹಿಂದೆ ಹೋದರು.

### ಯೇಸು ದಯವುಳ್ಳ ಅದ್ಭುತ ಕಾರ್ಯಗಳನ್ನು ಮಾಡಿ
### ತನ್ನ ಮಹಿಮೆಯನ್ನು ತೋರಿಸಿದ್ದು, (೮ .೨-೯ , ೩೪)

### ಕುಷ್ಠರೋಗಿಯನ್ನು ಸ್ವಸ್ಥ ಮಾಡಿದ್ದು. (ಮಾರ್ಕ ೧. ೪೦-೪೪. ಲೂಕ ೫. ೧೨-೧೪)

೨ ಒಬ್ಬ ಕುಷ್ಠರೋಗಿಯು ಯೇಸುವಿನ ಬಳಿಗೆ ಬಂದು ಆತನಿಗೆ ಅಡ್ಡಬಿದ್ದು – ಸ್ವಾಮೀ
ನಿನಗೆ ಮನಸ್ಸಿದ್ದರೆ ನನ್ನನ್ನು ಶುದ್ಧಮಾಡಬಲ್ಲೆ ಅಂದನು. ೩ ಆತನು ಕೈನೀಡಿ ಅವನನ್ನು ಮುಟ್ಟಿ
– ನನಗೆ ಮನಸ್ಸುಂಟು ಶುದ್ದನಾಗು ಅಂದನು ಕೂಡಲೆ ಅವನ ಕುಷ್ಠವು ವಾಸಿಯಾಯಿತು ೪ ಆಗ
ಯೇಸು ಅವನಿಗೆ ಯಾರಿಗೂ ಹೇಳಬೇಡ ನೋಡು. ಆದರೆ ಹೋಗಿ ಯಾಜಕನಿಗೆ ನಿನ್ನ ಮೈ
ತೋರಿಸಿ ಮೋಶೆ ನೇಮಿಸಿದ ಕಾಣಿಕೆಯನ್ನು ಕೊಡು . ಅದು ಜನರಿಗೆ ಸಾಕ್ಷಿಯಾಗಿರಲಿ
ಎಂದು ಹೇಳಿದನು.

### ಶತಾಧಿಪತಿಯ ಆಳನ್ನು ಸ್ವಸ್ಥಮಾಡಿದ್ದು.
### (ಲೂಕ ೭. ೧-೧೦ ; ೧೩, ೨೮,೨೯ )

೫ ಆತನು ಕಪೆರ್ನೌಮಿಗೆ ಬಂದಾಗ ದಂಡಿನ ಶತಾಧಿಪತಿಯು ಆತನ ಬಳಿಗೆ ಬಂದು –
೬ ಪ್ರಭುವೇ ನನ್ನ ಆಳು ಪಾರ್ಶ್ವವಾಯುವಿನಿಂದ ಬಹಳ ಕಷ್ಟಪಡುತ್ತಾ ಮನೆಯಲ್ಲಿ ಬಿದ್ದಿದ್ದಾನೆ
ಎಂದು ಹೇಳಿಕೊಂಡನು. ೭ ಆತನು ಅವನಿಗೆ – ನಾನು ಬಂದು ಅವನನ್ನು ವಾಸಿ ಮಾಡುತ್ತೇನೆ
ಎಂದು ಹೇಳಿದ್ದಕ್ಕೆ , ೮ ಆ ಶತಾಧಿಪತಿಯು -ಪ್ರಭುವೇ ನೀನು ನನ್ನ ಮನೆಗೆ ಬರತಕ್ಕ ಯೋಗ್ಯತೆ
ನನ್ನಲ್ಲಿಲ್ಲ. ನೀನು ಒಂದು ಮಾತು ಹೇಳಿದರೆ ಸಾಕು ನನ್ನ ಆಳಿಗೆ ಗುಣವಾಗುವದು. ೯ ನಾನು

ಸಹ ಮತ್ತೊಬ್ಬರ ಕೈಕೆಳಗಿರುವವನು. ನನ್ನ ಕೈಕೆಳಗೆ ಸಿಪಾಯಿಗಳಿದ್ದಾರೆ ನಾನು ಅವರಲ್ಲಿ
ಒಬ್ಬನಿಗೆ ಹೋಗು ಎಂದು ಹೇಳಿದರೆ ಹೋಗುತ್ತಾನೆ. ಮತ್ತೊಬ್ಬನಿಗೆ ಬಾ ಎಂದು ಹೇಳಿದರೆ
ಬರುತ್ತಾನೆ. ನನ್ನ ಆಳಿಗೆ ಇಂಥಿಂಥದನ್ನು ಮಾಡು ಎಂದು ಹೇಳಿದರೆ ಮಾಡುತ್ತಾನೆ ಅಂದನು.
೧೦ ಯೇಸು ಇದನ್ನು ಕೇಳಿ ಆಶ್ಚರ್ಯಪಟ್ಟು ತನ್ನ ಹಿಂದೆ ಬರುತ್ತಿದ್ದವರಿಗೆ – ನಾನು ಇಂಥಾ
ದೊಡ್ಡ ನಂಬಿಕೆಯನ್ನು ಇಸ್ರಾಯೇಲ್ ಜನರಲ್ಲಿಯೂ ಕಾಣಲಿಲ್ಲವೆಂದು ನುಮಗೆ ಸತ್ಯವಾಗಿ
ಹೇಳುತ್ತೇನೆ. ೧೧ ಇದಲ್ಲದೆ ನುಮಗೆ ಹೇಳುವದೇನಂದರೆ ಮೂಡಣ ಪಡುವಣ ದಿಕ್ಕುಗಳಿಂದ
ಬಹಳ ಜನ ಬಂದು ಪರಲೋಕರಾಜ್ಯದಲ್ಲಿ ಅಬ್ರಹಾಮ ಯಾಕೋಬ ಇಸಾಕ ಎಂಬವರ ಸಂಗಡ
ಊಟಕ್ಕೆ ಕೂಡ್ರುವರು. ೧೨ ಆದರೆ ಆ ರಾಜ್ಯದ ಬಾಧ್ಯಸ್ಥರು ಹೊರಗೆ ಕತ್ತಲೆಗೆ ಹಾಕಲ್ಪಡುವರು.
ಅಲ್ಲಿ ಗೋಳಾಟವೂ ಕಟಕಟನೆ ಹಲ್ಲು ಕಡಿಯೋಣವೂ ಇರುವವು ಎಂದು ಹೇಳಿದನು ೧೩ ಬಳಿಕ
ಯೇಸು ಆ ಶತಾಧಿಪತಿಗೆ – ನೀನು ನಂಬಿದಂತೆ ನಿನಗಾಗಲಿ. ಹೋಗು ಎಂದು ಹೇಳಿದನು. ಅದೇ
ಗಳಿಗೆಯಲ್ಲಿ ಅವನ ಆಳಿಗೆ ಗುಣವಾಯಿತು.

ಯೇಸು ಬೇರೆ ಅದ್ಭುತ ಕಾರ್ಯಗಳಿಂದ ತನ್ನ ಕನಿಕರದ ಸ್ವಭಾವವನ್ನು ತೋರಿಸಿದ್ದು

(ಮಾರ್ಕ ೧. ೨೯-೩೪ . ಲೂಕ ೪. ೩೮-೪೧ )

೧೪ ತರುವಾಯ ಯೇಸು ಪೇತ್ರನ ಮನೆಗೆ ಬಂದು ಅವನ ಅತ್ತೆ ಜ್ವರದಲ್ಲಿ ಬಿದ್ದಿರುವದನ್ನು ಕಂಡು
ಆಕೆಯ ಕೈಯನ್ನು ಮುಟ್ಟಿದನು ೧೫ ಮುಟ್ಟಿದಾಗಲೇ ಜ್ವರವು ಆಕೆಯನ್ನು ಬಿಟ್ಟುಹೋಯಿತು ಆಕೆ
ಎದ್ದು ಆತನಿಗೆ ಉಪಚಾರ ಮಾಡಿದಳು.
೧೬ ಸಂಜೆಯಾಗಲು ದೆವ್ವಹಿಡಿದ ಬಹಳ ಜನರನ್ನು ಆತನ ಬಳಿಗೆ ಕರತಂದರು ಆತನು
ಮಾತು ಮಾತ್ರದಿಂದಲೇ ದೆವ್ವಗಳನ್ನು ಬಿಡಿಸಿದ್ದಲ್ಲದೆ ಮೈಯಲ್ಲಿ ನೆಟ್ಟಗಿಲ್ಲದವರೆಲ್ಲರನ್ನು
ವಾಸಿಮಾಡಿದನು. ೧೭ ಇದರಿಂದ ನಮ್ಮ ಬೇನೆಗಳನ್ನು ತಾನೇ ತೆಗೆದುಕೊಂಡು ನಮ್ಮ
ರೋಗಗಳನ್ನು ಹೊತ್ತುಕೊಂಡನು ಎಂದು ಯೆಶಾಯನೆಂಬ ಪ್ರವಾದಿಯಿಂದ ಹೇಳಿರುವ ಮಾತು
ನೆರವೇರಿತು.

ಶಿಷ್ಯರಾಗಬೇಕೆಂದಿರುವವರಿಗೆ ವೈರಾಗ್ಯವೇ ಅವಶ್ಯವೆಂದು ಯೇಸು ಬೋಧಿಸಿದ್ದು.

(ಲೂಕ ೯. ೫೭-೬೦ )

೧೮ ಯೇಸು ತನ್ನ ಮುತ್ತಲಿದ್ದ ಬಹು ಜನಗಳ ದೊಡ್ಡ ಗುಂಪುಗಳನ್ನು ಕಂಡು ಆಚೇದಡಕ್ಕೆ ಹೊರಟು
ಹೋಗಬೇಕೆಂದು ಅಪ್ಪಣೆಕೊಟ್ಟನು. ೧೯ ಆಗ ಒಬ್ಬ ಶಾಸ್ತ್ರಿಯು ಹತ್ತರಕ್ಕೆ ಬಂದು ಆತನಿಗೆ –
ಗುರುವೇ ನೀನು ಎಲ್ಲಿಗೆ ಹೋದರೂ ನಾನು ನಿನ್ನ ಹಿಂದೆ ಬರುತ್ತೇನೆ ಎಂದು ಹೇಳನು ೨೦ ಯೇಸು
ಅವನಿಗೆ – ನರಿಗಳಿಗೆ ಗುದ್ದುಗಳಿವೆ ಆಕಾಶದಲ್ಲಿ ಹಾರಾಡುವ ಹಕ್ಕಿಗಳಿಗೆ ಗೂಡುಗಳಿವೆ
ಆದರೆ ಮನುಷ್ಯಕುಮಾರನಿಗೆ ತಲೆಯಿಡುವಷ್ಟು ಸ್ಥಳವೂ ಇಲ್ಲ ಎಂದು ಹೇಳಿದನು. ೨೧ ಶಿಷ್ಯರಲ್ಲಿ
ಬೇರೊಬ್ಬನು – ಸ್ವಾಮೀ ನಾನು ಮೊದಲು ಹೋಗಿ ನನ್ನ ತಂದಇಾಯ ಉತ್ತರ ಕ್ರಿಯೆಗಳನ್ನು ಮಾಡಿ
ಬರುವಂತೆ ನನಗಇಾ ಅಪ್ಪಣೆಯಾಗಬೇಕು ಅನ್ನಲಾಗಿ ೨೨ ಯೇಸು ಅವನಿಗೆ – ನನ್ನ ಹಿಂದೆ ಬಾ ,
ಸತ್ತವರೇ ತಮ್ಮವರಲ್ಲಿ ಸತ್ತುಹೋದವರ ಉತ್ತರಕ್ರಿಯೆಗಳನ್ನು ಮಾಡಲಿ ಎಂದು ಹೇಳಿದನು.

ಯೇಸು ಬಿರುಗಾಳಿಯಲ್ಲಿ ನಿದ್ದೆ ಮಾಡಿ ದೇವರ ಮೇಲಿರುವ ತನ್ನ ನಂಬಿಕೆಯನ್ನು ತೋರಿಸಿದ್ದು.

(ಮಾರ್ಕ ೪ . ೩೫-೪೧ ; ಲೂಕ ೮. ೨೨-೨೫ )

೨೩ ಆತನು ದೋಣಿಯನ್ನು ಹತ್ತಿದಾಗ ಆತನ ಶಿಷ್ಯರು ಆತನ ಹಿಂದೆ ಹೋದರು.
೨೪ ಅವರು ಹೋಗುತ್ತಿರುವಾಗ ಸಮುದ್ರವು ಅಲ್ಲಕಲ್ಲೋಲವಾಗಿ ದೋಣಿಯು ತೆರೆಗಳಿಂದ
ಮುಚ್ಚಿಹೋಯಿತು. ಆದರೆ ಆತನು ನಿದ್ದೆ ಹತ್ತಿ ಮಲಗಿದ್ದನು. ೨೫ ಅವರು ಹತ್ತಿರ ಬಂದು ಎಬ್ಬಿಸಿ –
ಸ್ವಾಮೀ ಕಾಪಾಡು ಸಾಯುತ್ತೇವೆ ಅನ್ನಲಾಗಿ ೨೬ ಆತನು ಅವರಿಗೆ – ಅಲ್ಪ ವಿಶ್ವಾಸಿಗಳೇ ಯಾಕೆ
ಧೈರ್ಯಗೆಡುತ್ತೀರಿ ಎಂದು ಹೇಳಿ ಎದ್ದು ಗಾಳಿಯನ್ನೂ ಸಮುದ್ರವನ್ನೂ ಗದರಿಸಿದನು. ಆಗ
ಎಲ್ಲಾ ಶಾಂತವಾಯಿತು. ೨೭ ಆ ಜನರು ಬೆರಗಾಗಿ – ಈತನು ಎಂಥವನಾಗಿರಬಹುದು ಗಾಳಿಯೂ
ಸಮುದ್ರವೂ ಸಹ ಈತನು ಹೇಳಿದ ಹಾಗೆ ಕೇಳುತ್ತವಲ್ಲಾ ಅಂದರು.

### ಯೇಸು ಇಬ್ಬರಿಂದ ಅನೇಕ ದೆವ್ವಗಳನ್ನು ಬಿಡಿಸಿದ್ದು.

(ಮಾರ್ಕ ೫ .೧-೨೦ ' ಲೂಕ ೮. ೨೬-೩೯ )

೨೮ ಆ ಮೇಲೆ ಆತನು ಆಚೇದಡಕ್ಕೆ ಗದರೇನರ ಸೀಮೆಗೆ ಮುಟ್ಟಿದಾಗ ದೆವ್ವಹಿಡಿದವರಿಬ್ಬರು
ಸಮಾಧಿಯ ಗವಿಗಳೊಳಗಿಂದ ಹೊರಟು ಆತನೆದುರಿಗೆ ಬಂದರು. ಅವರು ಬಹು
ಉಗ್ರರಾಗಿದ್ದರಿಂದ ಆ ದಾರಿಯಲ್ಲಿ ಯಾರೂ ತಿರುಗಾಡಲಾರದೆ ಇದ್ದರು. ೨೯ ಅವರು -ದೇವರ
ಮಗನೇ, ನಮ್ಮ ಗೊಡವೆ ನಿನಗೇಕೆ ಕಾಲ ಬರುವದಕ್ಕಿಂತ ಮುಂಚೆ ನಮ್ಮನ್ನು ಕಾಡುವದಕ್ಕೆ
ಇಲ್ಲಿಗೆ ಬಂದಿಯಾ ಎಂದು ಕೂಗಿದರು. ೩೦ ಸ್ವಲ್ಪ ದೂರದಲ್ಲಿ ಬಹಳ ಒಂದು ಹಿಂಡು ಮೇಯುತ್ತಿತ್ತು.
೩೧ ಆ ದೆವ್ವಗಳು – ನೀನು ನಮ್ಮನ್ನು ಇವರೊಳಗಿಂದ ಉಚ್ಚರಡಿಸುವದಾದರೆ ಆಹಂದಿಯ
ಗುಂಪಿನೊಳಗೆ ಕಳುಹಿಸಿಕೊಡು ಎಂದು ಬೇಡಿಕೊಂಡವು. ' ೩೨ ಆತನು ಹೋಗಿರಿ
ಅನ್ನಲು ಅವು ಹೊರಗೆ ಬಂದು ಹಂದಿಗಳೊಳಗೆ ಹೊಕ್ಕವು ಅ ಕ್ಷಣವೇ ಆ ಗುಂಪೆಲ್ಲಾ ಓಡಿ
ಕಡಿದಾದ ಸ್ಥಳದಿಂದ ಸಮುದ್ರದೊಳಗೆ ಬಿದ್ದು ನೀರಿನಲ್ಲಿ ಮುಣುಗಿ ಸತ್ತು ಹೋದವು.
೩೩ ಮೇಯಿಸುವವರು ಊರೊಳಕ್ಕೆ ಓಡಿಹೋಗಿ ಇದನ್ನೆಲ್ಲಾ ದೆವ್ವಹಿಡಿದವರ ಸಂಗತಿ
ಸಹಿತವಾಗಿ ತಿಳಿಸಲು ಊರಿನವರೆಲ್ಲರೂ ಯೇಸುವಿನೆದುರಿಗೆ ಹೊರಟುಬಂದು ಆತನನ್ನು
ಕಂಡು ತಮ್ಮ ಸೀಮೆಯನ್ನಯ ಬಿಟ್ಟು ಹೋಗಬೇಕೆಂದು ಬೇಡಿಕೊಂಡರು.

೯ ೧ ಆತನು ದೋಣಿಯನ್ನು ಹತ್ತಿ ಸಮುದ್ರವನ್ನು ದಾಟಿ ತನ್ನ ಊರಿಗೆ ಬಂದನು.

### ಪಾರ್ಶ್ವವಾಯು ರೋಗಿಗೆ ಪಾಪವನ್ನು ಕ್ಷಮಿಸಿದ್ದು

(ಮಾರ್ಕ ೨ ೧-೧೨. ಲೂಕ ೫. ೧೭-೨೬)

೨ ಅಲ್ಲಿಗೆ ಬಂದಾಗಹಾಸಿಗೆಯ ಮೇಲೆ ಬಿದ್ದುಕೊಂಡಿರುವ ಒಬ್ಬ ಪಾರ್ಶ್ವವಾಯು
ರೋಗಿಯನ್ನುಆತನ ಬಳಿಗೆ ಬಳಿಗೆ ಹೊತ್ತುಕೊಂಡು ಬಂದರು. ಯೇಸು ಅವರ ನಂಬಿಕೆಯನ್ನು
ನೋಡಿ ಪಾರ್ಶ್ವವಾಯು ರೋಗಿಗೆ – ಮಗವೇ ಧೈರ್ಯವಾಗಿರು ನಿನ್ನ ಪಾಪಗಳು ಕ್ಷಮಿಸಲ್ಪಟ್ಟಿವೆ
ಎಂದು ಹೇಳಿದನು. ೩ ಅಲ್ಲೋ ಶಾಸ್ತ್ರಗಳು ಕೆಲವರು – ಇವನು ದೇವದೂಷಣೆ ಮಾಡುತ್ತಾನೆಂದು
ತಮ್ಮತಮ್ಮೊಳಗೆ ಮಾತಾಡಿಕೊಂಡರು. ೪ ಯೇಸು ಅವರ ಆಲೋಚನೆಗಳನ್ನು ತಿಳಿದು – ನೀವು
ಯಾಕೆ ನಿಮ್ಮ ಮನಸ್ಸಿನಲ್ಲಿ ಕೆಟ್ಟ ಆಲೋಚನೆಯನ್ನು ಮಾಡುತ್ತೀರಿ. ೫ ಯಾವುದು ಸುಲಭ? ನಿನ್ನ
ಪಾಪಗಳು ಕ್ಷಮಿಸಲ್ಪಟ್ಟಿವೆ ಅನ್ನುವದೋ? ೬ ಎದ್ದು ನಡೆ ಅನ್ನುವದೋ? ಆದರೆ ಪಾಪಗಳನ್ನು
ಕ್ಷಮಿಸಿಬಿಡುವದಕ್ಕೆ ಮನುಷ್ಯಕುಮಾರನಿಗೆ ಭೂಲೋಕದಲ್ಲಿ ಅಧಿಕಾರ ಉಂಟೆಂಬದು
ನಿಮಗೆ ತಿಳಿಯಬೇಕು ಎಂದು ಹೇಳಿ ಪಾರ್ಶ್ವವಾಯು ರೋಗಿಯನ್ನು ನೋಡಿ- ಎದ್ದು ನಿನ್ನ
ಹಾಸಿಗೆಯನ್ನು ಎತ್ತಿಕೊಂಡು ಮನೆಗೆ ಹೋಗು ಅಂದನು. ೭ ಅವನು ಎದ್ದು ಮನೆಗೆ ಹೋದನು.
೮ ಜನರು ಇದನ್ನು ನೋಡಿ ಭಯಪಟ್ಟು ದೇವರು ಮನುಷ್ಯರಿಗೆ ಅಂಥ ಅಧಿಕಾರವನ್ನು ಕೊಟ್ಟದ್ದಕ್ಕೆ
ಆತನನ್ನು ಕೊಂಡಾಡಿದರು.

### ಯೇಸು ತಾನು ಪಾಪಿಗಳ ಸಂಗಡ ಊಟಮಾಡಿದ್ದಕ್ಕೂ ಉಪವಾಸ ಮಾಡದೇ ಹೋದದ್ದಕ್ಕೂ ಕಾರಣ ತೋರಿಸಿದ್ದು.

(ಮಾರ್ಕ ೨ .೧೩- ೨೨ ;ಲೂಕ ೫ .೨೭-೩೮ )

೯ ಯೇಸು ಅಲ್ಲಿಂದ ಹೋಗುತ್ತಿರುವಾಗ ಸುಂಕಕ್ಕೆ ಕೂತಿದ್ದ ಮತ್ತಾಯನೆಂಬ ಒಬ್ಬ ಮನುಷ್ಯನನ್ನು
ನೋಡಿ ನನ್ನನ್ನು ಹಿಂಬಾಲಿಸು ಎಂದು ಅವನನ್ನುಕರೆಯಲು ಅವನು ಎದ್ದು ಆತನನ್ನು
ಹಿಂಬಾಲಿಸಿದನು.

೧೦ ಅನಂತರ ಆತನು ಅವನ ಮನೆಯಲ್ಲಿ ಊಟಕ್ಕೆ ಕೂತಿರುವಾಗ ಬಹು ಮಂದಿ ಸುಂಕದನರೂ
ಪಾಪಿಗಳೂ ಬಂದು ಯೇಸುವಿನ ಮತ್ತು ಆತನ ಶಿಷ್ಯರ ಪಙ್ತಿಯಲ್ಲೇ ಕೂತುಕೊಂಡರು.
೧೧ ಫರಿಸಾಯರು ಅದನ್ನು ನೋಡಿ ಆತನ ಶಿಷ್ಯರನ್ನು - ನಿಮ್ಮ ಗುರುವು ಸುಂಕದವರ ಮತ್ತು
ಪಾಪಿಗಳ ಸಂಗಡ ಯಾಕೆ ಊಟಮಾಡುತ್ತಾನೆ ಎಂದು ಕೇಳಿದರು. ೧೨ ಆತನು ಅದನ್ನು
ಕೇಳಿ ಕ್ಷೇಮದಿಂದೊರುವವರಿಗೆ ವೈದ್ಯನು ಬೇಕಾಗಿಲ್ಲ. ಕ್ಷೇಮವಿಲ್ಲದವರಿಗೆ ಬೇಕು.
೧೩ ನೀವು ಹೋಗೆ - ನನಗೆ ಯಜ್ಞವು ಬೇಡ ಕರುಣೆಯೇ ಬೇಕು ಎಂಬ ಮಾತಿನ ಅರ್ಥವನ್ನು
ಕಲಿತುಕೊಳ್ಳಿರಿ. ನಾನು ನೀತಿವಂತರನ್ನು ಕರೆಯುವದಕ್ಕೆ ಬಂದವನಲ್ಲ ಪಾಪಿಗಳನ್ನು
ಕರೆಯುವದಕ್ಕೆ ಬಂದವನು ಅಂದನು.

೧೪ ಆ ಮೇಲೆ ಯೋಹಾನನ ಶಿಷ್ಯರು ಆತನ ಬಳಿಗೆ ಬಂದು – ಫರಿಸಾಯರು ನಾವೂ
ಉಪವಾಸಮಾಡುತ್ತೇವಲ್ಲ. ನಿನ್ನ ಶಿಷ್ಯರು ಯಾಕೆ ಉಪವಾಸ ಮಾಡುವದಿಲ್ಲ ಎಂದು ಕೇಳಲು
, ೧೫ ಮದುವೆಯ ಜನರು ತಮ್ಮ ಸಂಗಡ ಮದಲಿಂಗನು ಇರುವ ತನಕ ದುಃಖ ಪಟ್ಟಾರೋ?
ಆದರೆ ಮದಲಿಂಗನನ್ನು ಅವರ ಬಳಿಯಿಂದ ತೆಗೆದುಕೊಂಡು ಹೋಗುವ ಕಾಲ ಬರುತ್ತದೆ. ಆಗ
ಅವರು ಉಪವಾಸ ಮಾಡುವರು. ಯಾರು ಹೊಸ ಬಟ್ಟೆಯ ತುಂಡನ್ನು ಹಳೆಯ ವಸ್ತ್ರಕ್ಕೆ ತ್ಯಾಪೆ
ಹಚ್ಚುವದಿಲ್ಲ. ೧೬ ಹಚ್ಚಿದರೆ ಆ ತ್ಯಾಪೆಯು ವಸ್ತ್ರವನ್ನು ಹಿಂಜುವದರಿಂದ ಹರಕು ಹೆಚ್ಚಾಗುವದು.
೧೭ ಇದಲ್ಲದೆ ಹಳೆಯ ಬುದ್ದಲಿಗಳಲ್ಲಿ ಹೊಸ ದ್ರಾಕ್ಷಾರಸವನ್ನು ಹಾಕಿಡುವದಿಲ್ಲ. ಇಟ್ಟರೆ ನುದ್ದಲಿಗಳು
ಒಡೆದು ದ್ರಾಕ್ಷಾರಸವು ಚೆಲ್ಲಿಹೋಗುವದು. ಬುದ್ದಲಿಗಳು ಕೆಟ್ಟು ಹೋಗುವವು. ಆದರೆ ಹೊಸ
ದ್ರಾಕ್ಷಾರಸವನ್ನು ಹೊಸ ಬುದ್ದಲಿಗಳಲ್ಲಿ ಹಾಕಿಡುತ್ತಾರೆ. ಆಗ ಎರಡೂ ಉಳಿಯುತ್ತವೆ ಎಂದು
ಹೇಳಿದನು.

ಯೇಸು ಒಬ್ಬ ಹುಡುಗಿಯನ್ನು ಬದುಕಿಸಿದ್ದು. ಇನ್ನೂ ಕೆಲವು ಅದ್ಭುತಗಳನ್ನು ನಡೆಸಿದ್ದು.
(ಮಾರ್ಕ ೫ . ೨೨-೪೩; ಲೂಕ ೮. ೪೧-೫೬ )

೧೮ ಹೀಗೆ ಆತನು ಅವರೊಂದಿಗೆ ಮಾತಾಡುತ್ತಿರುವಾಗ ಒಬ್ಬ ಅಧಿಕಾರಿ ಬಂದು ಆತನಿಗೆ
ಅಡ್ಡಬಿದ್ದು. – ನನ್ನ ಮಗಳು ಈಗಲೇ ತೀರಿಹೋದಳು. ಆದಾಗ್ಯೂ ನೀನು ಬಂದು
ಆಕೆಯ ಮೇಲೆ ಕೈ ಇಟ್ಟರೆ ಬದುಕುವಳು ಎಂದು ಬೇಡಿಕೊಳ್ಳಲು,
೧೯ ಯೇಸು ಎದ್ದು ತನ್ನ ಶಿಷ್ಯರನ್ನು ಕರಕೊಂಡು ಅವನ ಹಿಂದೆ ಹೋದನು.

೨೦ ಅಷ್ಟರಲ್ಲಿ ಹನ್ನೆರಡು ವರುಷದಿಂದ ರಕ್ತಕುಸುಮ ರೋಗವಿದ್ದ ಒಬ್ಬ ಹೆಂಗಸು – ೨೧ ನಾನು ಆತನ
ಉಡುಪನ್ನು ಮುಟ್ಟಿದರೆ ಸಾಕು ನೆಟ್ಟಗಾಗುವೆನು ಎಂದು ಮನಸ್ಸಿನಲ್ಲಿ ಅಂದುಕೊಂಡು ಹಿಂದಿನಿಂದ
ಬಂದು ಆತನ ಉಡುಪಿನ ಗೊಂಡೆಯನ್ನು ಮುಟ್ಟಿದಳು. ೨೨ ಆಗ ಯೇಸು ಹಿಂತಿರುಗಿ ಆಕೆಯನ್ನು
ನೋಡಿ – ಮಗಳೇ, ಧೈರ್ಯವಾಗಿರು , ನಿನ್ನ ನಂಬಿಕೆಯೇ ನಿನ್ನನ್ನು ಸ್ವಸ್ಥಮಾಡಿತು ಅಂದನು. ಆ
ಕ್ಷಣವೇ ಆ ಹೆಂಗಸು ಸ್ವಸ್ಥವಾದಳು.
೨೩ ಆ ಮೇಲೆ ಯೇಸು ಅಧಿಕಾರಿಯ ಮನೆಗೆ ಬಂದು ವಾದ್ಯಗಾರರನ್ನೂ ಗದ್ದಲ ಮಾಡುವ ಜನರ
ಗುಂಪನ್ನೂ ಕಂಡು – ೨೪ ಹೋಗಿರಿ ಹುಡುಗಿ ಸತ್ತಿಲ್ಲ ನಿದ್ದೆ ಮಾಡುತ್ತಾಳೆ ಅನ್ನಲು ಅವರು ಆತನನ್ನು
ಹಾಸ್ಯ ಮಾಡಿದರು. ೨೫ ಜನರನ್ನು ಹೊರಕ್ಕೆ ಕಳುಹಿಸಿದ ಮೇಲೆ ಆತನು ಒಳಕ್ಕೆ ಹೋಗಿ ಆಕೆಯ
ಕೈ ಹಿಡಿಯಲು ಆಕೆ ಎದ್ದಳು. ಈ ಸುದ್ದಿ ಆ ದೇಶದೊಳಗೆಲ್ಲಾ ಹಬ್ಬಿತು.
೨೬ ಯೇಸು ಅಲ್ಲಿಂದ ಹೋಗುವಾಗ ಇಬ್ಬರು ಕುರುಡರು – ದಾವೀದನ ಕುಮಾರನೇ ನಮ್ಮನ್ನು
ಕರುಣಿಸು ಎಂದು ಕೂಗುತ್ತಾ ಆತನ ಹಿಂದೆ ಹೋದರು. ೨೭ ಆತನು ಮನೆಗೆ ಬಂದಾಗ ಆ ಕುರುಡರು
ಆತನ ಬಳಿಗೆ ಬಂದರು ಯೇಸು ಅವರನ್ನು – ನಾನು ಇದನ್ನು ಮಾಡಬಲ್ಲೆನೆಂಬದನ್ನು ನಂಬುತ್ತೀರೋ
ಎಂದು ಕೇಳಿದ್ದಕ್ಕೆ ಅವರು ಹೌದು ಸ್ವಾಮಿ ನಂಬುತ್ತೇವೆ ಅಂದರು. ೨೮ ಆಗ ಆತನು ಅವರ
ಕಣ್ಣುಗಳನ್ನು ಮುಟ್ಟಿ – ನೀವು ನಂಬಿದಂತೆ ನಿಮಗೆ ಆಗಲಿ ಅಂದನು ಆಗ ಅವರಿಗೆ ಕಣ್ಣು ಬಂದವು
ಮತ್ತು, ೩೦ ಯೇಸು ಅವರಿಗೆ ಇದು ಯಾರಿಗೂ ತಿಳಿಯಬಾರದು ನೋಡಿರಿ ಎಂದು ಖಂಡಿತವಾಗಿ
ಹೇಳಿದನು. ೩೧ ಆದರೆ ಅವರು ಹೊರಟು ಹೋಗಿ ಆ ದೇಶದೊಳಗೆಲ್ಲಾ ಆತನ ಸುದ್ದಿಯನ್ನು
ಹಬ್ಬಿಸಿದರು.
೩೨ ಅವರು ಹೊರಟುಹೋಗುತ್ತಿರುವಾಗ ದೆವ್ವಹಿಡಿದ ಒಬ್ಬ ಮೂಕನನ್ನು ಆತನ ಬಳಿಗೆ
ಕರತಂದರು ೩೩ ಆತನು ದವ್ವಬಿಡಿಸಿದ ಮೇಲೆ ಆಮೂಕನು ಮಾತಾಡುವವನಾದನು. ಅದಕ್ಕೆ ಆ
ಜನರು – ಇಸ್ರಾಯೇಲ ಜನರಲ್ಲಿ ಇಂಥ ಕಾರ್ಯವನ್ನು ಇದುವರೆಗೆ ಯರೂ ನೋಡಲಿಲ್ಲವೆಂದು
ಬೆರಗಾದರು. ೩೪ ಆದರೆ ಫರಿಸಾಯರು – ಇವನು ದವ್ವಗಳ ಒಡೆಯನ ಸಹಾಯದಿಂದಲೇ
ದವ್ವಗಳನ್ನು ಬಿಡಿಸುತ್ತಾನೆ ಅಂದನು.

ಯೇಸು ಹನ್ನೆರಡು ಮಂದಿ ಶಿಷ್ಯರನ್ನು ಆದುಕೊಂಡು ಸುವಾರ್ತೆಯನ್ನು ಸಾರುವದಕ್ಕೆ ಕಳುಹಿಸಿದ್ದು.
(ಮಾರ್ಕ ೩ .೧೩-೧೯ .;೬ .೬-೧೩ ; ಲೂಕ ೬. ೧೨- ೧೬ ; ೯ . ೧-೬ ) ೩೫ ಯೇಸು ಎಲ್ಲಾ ಊರುಗಳನ್ನೂ
ಹಳ್ಳಿಪಳ್ಳಿಗಳನ್ನೂ ಸುತ್ತಿಕೊಂಡು ಅವರ ಸಭಾಮಂದಿರಗಳಲ್ಲಿ ಉಪದೇಶಮಾಡುತ್ತಾ
ಪಜಲೋಕರಾಜ್ಯದ ಸುವಾರ್ತೆಯನ್ನು ಸಾರಿ ಹೇಳುತ್ತಾ ಎಲ್ಲಾ ತರದ ರೋಗಗಳನ್ನೂ ಎಲ್ಲಾ ತರದ
ಬೇನೆಗಳನ್ನೂ ವಾಸಿಮಾಡುತ್ತಾ ಬಂದನು. ೩೬ ಆದರೆ ಜನರ ಹುಂಪುಗಳನ್ನು ನೋಡಿ ಅವರು
ಕುರುಬನಿಲ್ಲದ ಕುರಿಗಳ ಹಾಗೆ ತೊಳಲಿ ಬಳಲಿ ಹೋಗಿದ್ದಾರಲ್ಲ ಎಂದು ಅವರ ಮೇಲೆ
ಕನಿಕರಪಟ್ಟನು. ೩೭ ಆಗ ತನ್ನ ಶಿಷ್ಯರಿಗೆ – ಬೆಳೆಯು ಬಹಳ ಕೆಲಸದವರು
ಸ್ವಲ್ಪ. ೩೮ ಆದದರಿಂದ ಬೆಳೆಯ ಯಜಮಾನನನ್ನು ನಿನ್ನ ಬೆಳೆಗೆ
ಕೆಲಸದವರನ್ನು ಕಳುಹಿಸಬೇಕೆಂದು ಬೇಡಿಕೊಳ್ಳಿರಿ ಎಂದು ಹೇಳಿದನು.

೧೦ ೧ ಆತನು ತನ್ನ ಹನ್ನೆರಡು ಮಂದಿ ಶಿಷ್ಯರನ್ನು ಹತ್ತರಕ್ಕೆ ಕರೆದು ದೆವ್ವಗಳನ್ನು
ಬಿಡಿಸುವದಕ್ಕೂ ಎಲ್ಲಾ ತರದ ರೋಗಗಳನ್ನೂ ಎಲ್ಲಾ ತರದ ಬೇನೆಗಳನ್ನೂ
ವಾಸಿಮಾಡುವದಕ್ಕೂ ಅವರಿಗೆ ಅಧಿಕಾರ ಕೊಟ್ಟನು.
೨ ಆತನು ಕಳುಹಿಸಿಕೊಟ್ಟ ಅಪೊಸ್ತಲರೆಂಬ ಹನ್ನೆರಡು ಮಂದಿಯ ಹೆಸರುಗಳು
ಯಾವವೆಂದರೆ – ಮೊದಲನೆಯವನು ಪೇತ್ರನೆನಿಸಿಕೊಳ್ಳುವ ಸೀಮೊನ ಅವನ ತಮ್ಮನಾದ
ಅಂದ್ರೇಯ ಜೆಬೆದಾಯನ ಮಗನಾದ ಯಾಕೋಬ ಅವನ ತಮ್ಮನಾದ ಯೋಹಾನ, ೩ ಫಿಲಿಪ್ಪ
ಬಾರ್ತೊಲೊಮಾಯ ತೋಮ ಸುಂಕದ ಮತ್ತಾಯ ಅಲ್ಫಾಯನ ಮಗನಾದ ಯಾಕೋಬ ,
ತದ್ದಾಯ . ೪ ಮತಾಭಿಮಾನಿ ಎಂದು ಹೆಸರುಗೊಂಡ ಸೀಮೋನ ಯೇಸುವನ್ನು ಹಿಡಿದುಕೊಟ್ಟ
ಇಸ್ಕರಿಯೋತ ಯೂದ ಇವುಗಳೇ.
೫ ಈ ಹನ್ನೆರಡು ಮಂದಿಯನ್ನು ಯೇಸು ಕಳುಹಿಸಿದನು. ಅವರಿಗೆ ಅಪ್ಪಣೆ ಕೊಟ್ಟದ್ದೇನಂದರೆ
– ಅನ್ಯಜನಗಳ ಕಡೆಗೆ ಹೋಗಬೇಡಿರಿ. ಸಮಾಯರ್ೋ ಊರೊಳಗೆ ಕಾಲಿಡಬೇಡಿರಿ.
೬ ಇವರನ್ನು ಬಿಟ್ಟು ತಪ್ಪಿಸಿಕೊಂಡ ಕುರಿಗಳಂತಿರುವ ಇಸ್ರಾಯೇಲ ಮನೆತನದವರ ಬಳಿಗೆ
ಹೋಗಿರಿ. ೭ ಪರಲೋಕ ರಾಜ್ಯವು ಸಮೀಪವಾಯಿತೆಂದು ಸಾರಿಹೇಳುತ್ತಾ ಹೋಗಿರಿ.
೮ ರೋಗಿಗಳನ್ನು ಸ್ವಸ್ಥಮಾಡಿರಿ.ಅತ್ತವರನ್ನು ಬದುಕಿಸಿರಿ. ಕುಷ್ಠಹತ್ತಿದವರನ್ನು ಶುದ್ಧಮಾಡಿರಿ.
ದೆವ್ವಗಳನ್ನು ಬಿಡಿಸಿರಿ. ಉಚಿತವಾಗಿ ಹೊಂದಿದ್ದಿರಿ ಉಚಿತವಾಗಿ ಕೊಡಿರಿ. ೯ ನಿಮ್ಮ
ಹಮ್ಮಿಣಿಗಳಲ್ಲಿ ಹೊನ್ನು ಹಣ ದುಡ್ಡುಗಳನ್ನೂ ದಾರಿಗೆ ಹಸಿಬೆಯನ್ನೂ , ೧೦ ಎರಡು ಅಂಗಿ, ಕೆರ
ಕೋಲು ಮೊದಲಾದವುಗಳನ್ನೂ ಸೌರಿಸಿಕೊಳ್ಳಬೇಡಿರಿ. ಆಳು ಬಂಬಲಿಗೆ ಯೋಗ್ಯನಷ್ಟೆ.
೧೧ ನೀವು ಯಾವುದೊಂದು ಊರಿಗೆ ಅಥವಾ ಹಳ್ಳಿಗೆ ಸೇರಿದಾಗ ಅಲ್ಲಿ ಯೋಗ್ಯರು ಯಾರೆಂದು
ವಿಚಾರಣೆ ಮಾಡಿ ಮುಂದಕ್ಕೆ ಹೊರಡುವ ತನಕ ಅವರಲ್ಲೆ ಇರ್ರಿ. ೧೨ ಆ ಮನೆಯೊಳಕ್ಕೆ
ಹೋಗುವಾಗ ಶುಭವಾಗಲಿ ಅನ್ನಿರಿ. ೧೩ ಆ ಮನೆಯವರು ಯೋಗ್ಯರಾಗಿದ್ದರೆ ನಿಮ್ಮ
ಆಶೀರ್ವಾದವು ಅವರಿಗೆ ಆಗಲಿ. ಅಯೋಗ್ಯರಾಗಿದ್ದರೆ ನಿಮ್ಮ ಆಶೀರ್ವಾದವು ನಿಮಗೆ
ಹಿಂದಕ್ಕೆ ಬರಲಿ. ೧೪ ಯಾರಾದರೂ ನಿಮ್ಮನ್ನು ಸೇರಿಸಿಕೊಳ್ಳದೆಯೂ ನಿಮ್ಮ ವಾಕ್ಯಗಳನ್ನೂ
ಕೇಳದೆಯೂ ಹೋದರೆ ನೀವು ಆ ಮನೆಯನ್ನಾಗಲ, ಆ ಊರನ್ನಾಗಲಿ ಬಿಟ್ಟು ಹೊರಡುವಾಗ
ನಿಮ್ಮ ಕಾಲಿಗೆ ಹತ್ತಿದ ದೂಳನ್ನು ಝಾಡಿಸಿಬಿಡಿರಿ. ೧೫ ನ್ಯಾಯವಿಚಾರಣೆಯ ದಿವಸದಲ್ಲಿ ಅಂಥ
ಊರಿನ ಗತಿಯು ಸೊದೋಮ್ ಗಮೋರಗಳ ಸೀಮೆಯ ಗತಿಗಿಂತಲೂ ಕಠಿಣವಾಗಿರುವದು
ಎಂದು ನಿಮಗೆ ಸತ್ಯವಾಗಿ ಹೇಳುತ್ತೇನೆ.
೧೬ ನೋಡಿರಿ, ತೋಳಗಳ ನಡುವೆ ಕುರಿಗಳನ್ನು ಹೊಡಿಸಿದಂತೆ ನಾನು ನಿಮ್ಮನ್ನು
ಕಳುಹಿಸಿಕೊಡುತ್ತೇನೆ. ಆದದರಿಂದ ಸರ್ಪಗಳಂತೆ ಜಾಣರೂ ಪಾರಿವಾಳಗಳಂತೆ ನಿಷ್ಕಪಟಿಗಳೂ
ಆಗಿರ್ರಿ. ೧೭ ಇದಲ್ಲದೆ ಜನರ ವಿಷಯದಲ್ಲಿ ಎಚ್ಚರಿಕೆಯಾಗಿರ್ರಿ. ಅವರು ನಿಮ್ಮನ್ನು
ನ್ಯಾಯವಿಚಾರಣೆಯ ಸಭೆಗಳಿಗೆ ಎಳಕೊಂಡು ಹೋಗುವರು. ತಮ್ಮ ಸಭಾಮಂದಿರಗಳಲ್ಲಿ
ನಿಮ್ಮನ್ನು ಕೊರಡೆಗಳಿಂದ ಹೊಡೆಯುವರು. ೧೮ ನನ್ನ ನಿಮಿತ್ತವಾಗಿ ನಿಮ್ಮನ್ನು ಅಧಿಪತಿಗಳ
ಮುಂದಕ್ಕೂ ಅರಸುಗಳ ಮುಂದಕ್ಕೂ ತೆಗೆದುಕೊಂಡು ಹೋಗುವರು. ಹೀಗೆ ಅವರಿಗೂ
ಅನ್ಯಜನಗಳಿಗೂ ಸಾಕ್ಷಿಯಾಗುವದು. ೧೯ ಆದರೆ ಅವರು ನಿಮ್ಮನ್ನು ಒಪ್ಪಿಸಿ ಕೊಡುವಾಗ
ಹೇಗೆ ಮಾತಾಡಬೇಕು ಏನು ಹೇಳಬೇಕು ಎಂದು ಚಿಂತೆ ಮಾಡಬೇಡಿರಿ. ಆಡತಕ್ಕ ಮಾತು
ಆ ಗಳಿಗೆಯಲ್ಲಿ ನಿಮಗೆ ಸಚವೆಯಾಗುವದು. ೨೦ ಮಾತಾಡುವವರು ನೀವಲ್ಲ ನಿಮ್ಮ ತಂದೆಯ
ಆತ್ಮನೇ ನಿಮ್ಮ ಮುಖಾಂತರವಾಗಿ ಮಾತಾಡುವನು. ೨೧ ಇದಲ್ಲದೆ ಅಣಶಣನು ತಮ್ಮನನ್ನು,

ತಂದೆಯು ಮಗನನ್ನು ಮರಣಕ್ಕೆ ಒಪ್ಪಿಸುವರು. ಮಕ್ಕಳು ಹೆತ್ತವರ ಮೇಲೆ ತಿರುಗಿಬಿದ್ದು
ಅವರನ್ನು ಕೊಲ್ಲಿಸುವರು. ೨೨ ಮತ್ತು ನನ್ನ ಹೆಸರಿನ ನಿಮಿತ್ತ ನಿಮ್ಮನ್ನು ಎಲ್ಲರೂ ಹಗೆಮಾಡುವರು.
ಆದರೆ ಕಡೇ ವರೆಗೂ ತಾಳುವವನು ರಕ್ಷಣೆ ಹೊಂದುವನು. ೨೩ ಒಂದು ಊರಲ್ಲಿ ನಿಮ್ಮನ್ನು
ಹಿಂಸೆಹಡಿಸಿದರೆ ಮತ್ತೊಂದು ಊರಿಗೆ ಓಡಿಹೋಗಿರಿ ಮನುಷ್ಯಕುಮಾರನು ಬರುವಷ್ಟರಲ್ಲಿ
ನೀವು ಇಸ್ರಾಯೆಲ ಜನರ ಊರುಗಳ ಸಂಚಾರವನ್ನು ತೀರಿಸಿರುವದಿಲ್ಲವೆಂದು ನಿಮಗೆ ಸತ್ಯವಾಗಿ
ಹೇಳುತ್ತೇನೆ.

೨೪ ಗುರುವಿಗಿಂತ ಶಿಷ್ಯನು ದೊಡ್ಡವನಲ್ಲ. ದಣಿಗಿಂತ ಆಳು ದೊಡ್ಡವನಲ್ಲ. ೨೫ ಗುರುವಿನಂತೆ
ಆಗುವದು ಶಿಷ್ಯನಿಗೆ ಸಾಕು. ದಣಿಯಂತೆ ಆಗುವದು ಆಳಿಗೆ ಸಾಕು. ಅವರು ಮನೆಯ
ಯಜಮಾನನಿಗೆ ಬೆಲ್ಜೆಬೂಲನೆಂದು ಹೆಸರಿಟ್ಟ ಮೇಲೆ ಆತನ ಮನೆಯವರನ್ನು ಏನಂದಾರು?
೨೬ ಆದರೂ ಅವರಿಗೆ ಹೆದರಬೇಡಿರಿ. ಮರೆಯಾಗಿರುವ ಯಾವದೂ ವ್ಯಕ್ತವಾಗದೆ ಇರುವದಿಲ್ಲ
ಹೊರಪಡದ ರಹಸ್ಯವು ಇಲ್ಲ ೨೭ ನನು ಕತ್ತಲಲ್ಲಿ ನಿಮಗೆ ಹೇಳುವದನ್ನು ನೀವು ಬೆಳಕಿನಲ್ಲಿ
ಹೇಳಿರಿ. ಮತ್ತು ಕಿವಿಯಲ್ಲಿ ಕೇಳಿದ್ದನ್ನು ಮಾಳಿಗೆಗಳ ಮೇಲೆ ನಿಂತು ಸಾರಿರಿ. ೨೮ ಇದಲ್ಲದೆ
ದೇಹವನ್ನು ಕೊಂದು ಆತ್ಮವನ್ನು ಕೊಲ್ಲಲಾರದವರಿಗೆ ಹೆದರಬೇಡಿರಿ. ಆತ್ಮ ದೇಹ ಎರಡನ್ನೂ
ಕೂಡ ನರಕದಲ್ಲಿ ಹಾಕಿ ನಾಶಮಾಡಬಲ್ಲಾತನಿಗೇ ಹೆದರಿರಿ ೨೯ ದುಡ್ಡಿಗೆ ಎರಡು ಗುಬ್ಬಿಗಳನ್ನು
ಮಾರುವದುಂಟಲ್ಲಾ ಆದರೂ ನಿಮ್ಮ ತಂದೆಯ ಚಿತ್ತವಿಲ್ಲದೆ ಒಂದಾದರೂ ನೆಲಕ್ಕೆ ಬೀಳದು.
೩೦ ನಿಮ್ಮ ತಲೇ ಕೂದಲುಗಳು ಸಹ ಎಲ್ಲವೂ ಎಣಿಕೆಯಾಗಿವೆ. ೩೧ ಆದದರಿಂದ ಹೆದರಬೇಡಿರಿ
ಬಹಳ ಗುಬ್ಬಿಗಳಿಗಿಂತ ನೀವು ಹೆಚ್ಚಿನವರು.

೩೨ ಹಾಗಾದರೆ ಯಾವನು ಮನುಷ್ಯರ ಮುಂದೆ ತಾನು ಯೇಸುವಿನವನೆಂದು ಒಪ್ಪಿಕೊಳ್ಳುವನೋ
ನಾನು ಸಹ ಅವನನ್ನು ನನ್ನವನೆಂದು ಪರಲೋಕದಲ್ಲರುವ ನನ್ನ ತಂದೆಯ ಮುಂದೆ
ಒಪ್ಪಿಕೊಳ್ಳುವೆನು. ೩೩ ಆದರೆ ಯಾವನು ಮನುಷ್ಯರ ಮುಂದೆ ತಾನು ಯೇಸುವಿನವನಲ್ಲವೆಂದು
ಹೇಳುವನೋ ಅವನನ್ನು ನಾನು ಸಹ ಪರಲೋಕದಲ್ಲರುವ ನನ್ನ ತಂದೆಯ ಮುಂದೆ
ನನ್ನವನಲ್ಲವೆಂದು ಹೇಳುವೆನು.

೩೪ ಭೂಲೋಕದ ಮೇಲೆ ಸಮಾದಾನ ಹುಟ್ಟಿಸುವದಕ್ಕೆ ಬಂದೆನೆಂದು ನೆನಸಬೇಡಿರಿ.
ಸಮಾದಾನವನ್ನು ಹುಟ್ಟಿಸುವದಕ್ಕೆ ನಾನು ಬಂದಿಲ್ಲ. ಖಡ್ಗವನ್ನು ಹಾಕುವದಕ್ಕೆ ಬಂದೆನು.
೩೫ ಹೇಗಂದರೆ ಮಗನಿಗೂ ತಂದೆಗೂ , ಮಗಳಿಗೂ ತಾಯಿಗೂ, ಸೊಸೆಗೂ ಅತ್ತೆಗೂ
ಭೇದಹುಟ್ಟಿಸುವದಕ್ಕೆ ಬಂದೆನು. ೩೬ ಹೀಗೆ ಒಬ್ಬ ಮನುಷ್ಯನಿಗೆ ಅವನ ಮನೆಯವರೇ
ವೈರಿಗಳಾಗುವರು. ೩೭ ತಂದೆಯ ಮೇಲಾಗಲಿ ತಾಯಿಯ ಮೇಲಾಗಲಿ ನನ್ನ ಮೇಲೆ
ಇಡುವದಕ್ಕಿಂತ ಹೆಚ್ಚಾದ ಮಮತೆಯನ್ನಿಡುವವನು ನನಗೆ ಯೋಗ್ಯನಲ್ಲ. ಮಗನ ಮೇಲಾಗಲಿ
ಮಗಳ ಮೇಲಾಗಲಿ ನನ್ನ ಮೇಲೆ ಇಡುವದಕ್ಕಿಂತ ಹೆಚ್ಚಾದ ಮಮತೆಯನ್ನಿಡುವವನು ನನಗೆ
ಯೋಗ್ಯನಲ್ಲ ೩೮ ಮತ್ತು ಯಾವನಾದರೂ ತನ್ನ ಶಿಲುಬೆಯನ್ನು ತೆಗೆದುಕೊಂಡು ನನ್ನ ಹಿಂದೆ ಬಂದ
ಹೊರತು ನನಗೆ ಯೋಗ್ಯನಲ್ಲ. ೩೯ ತನ್ನ ಪ್ರಾಣವನ್ನು ಕಂಡುಕೊಂಡವನು ಅದನ್ನು ಕಳಕೊಳ್ಳುವನು.
ನನ್ನ ನಿಮಿತ್ತವಾಗಿ ತನ್ನ ಪ್ರಾಣವನ್ನು ಕಳಕೊಂಡವನು ಅದನ್ನು ಕಂಡುಕೊಳ್ಳುವನು.

೪೦ ನಿಮ್ಮನ್ನು ಸೇರಿಸಿಕೊಳ್ಳುವವನು ನನ್ನನ್ನು ಸೇರಿಸಿಕೊಳ್ಳುವವನಾಗಿದ್ದಾನೆ. ನನ್ನನ್ನು
ಸೇರಿಸಿಕೊಳ್ಳುವವನು ನನ್ನನ್ನು ಕಳುಹಿಸಿಕೊಟ್ಟಾತನನ್ನು ಸೇರಿಸಿಕೊಳ್ಳುವವನಾಗಿದ್ದಾನೆ .
೪೧ ಪ್ರವಾದಿಯನ್ನು ಪ್ರವಾದಿಯೆಂದು ಸೇರಿಸಿಕೊಳ್ಳುವವನು ಪ್ರವಾದಿಗೆ ಬರತಕ್ಕ ಪ್ರತಿಫಲವನ್ನು
ಹೊಂದುವನು. ನೀತಿವಂತನನ್ನು ನೀತಿವಂತನೆಂದು ಸೇರಿಸಿಕೊಳ್ಳುವವನು ನೀತಿವಂತನಿಗೆ
ಬರತಕ್ಕ ಪ್ರತಿಫಲವನ್ನು ಹೊಂದುವನು. ೪೨ ಮತ್ತು ಈ ಚಿಕ್ಕವರಲ್ಲಿ ಒಬ್ಬನಿಗೆ ಯೇಸುವಿನ
ಶಿಷ್ಯನೆಂದು ಯಾವನಾದರೂ ಒಂದು ತಂಬಿಗೆ ತಣ್ಣೀರನ್ನಾದರೂ ಕುಡಿಯುವದಕ್ಕೆ ಕೊಟ್ಟರೆ
ಬರತಕ್ಕ ಪ್ರತಿಫಲವು ಅವನಿಗೆ ತಪ್ಪುವದೇ ಇಲ್ಲವೆಂದು ನಿಮಗೆ ಸತ್ಯವಾಗಿ ಹೇಳುತ್ತೇನೆ.

೧೧ ೧ ಯೇಸು ತನ್ನ ಹನ್ನೆರಡು ಮಂದಿ ಶಿಷ್ಯರಿಗೆ ಹೇಳಬೇಕಾದದ್ದನ್ನು ಹೇಳಿ ಮುಗಿಸಿದ
ಬಳಿಕ ಅಲ್ಲಿಯವರ ಊರುಗಳಲ್ಲಿ ಉಪದೇಶಮಾಡುವದಕ್ಕೂ ಸುವಾರ್ತೆಯನ್ನು
ಸಾರುವದಕ್ಕೂ ಅಲ್ಲಿಂದ ಹೊರಟನು.

ಸ್ನಾನಿಕವಾದ ಯೋಹಾನನು ಮಾಡಿದ ವಿಚಾರಣೆಗೆ ಯೇಸು ಉತ್ತರ ಕೊಟ್ಟದ್ದು.
೨ ಯೋಹಾನನು ಕ್ರಿಸ್ತನ ಕಾರ್ಯಗಳ ಸುದ್ದಿಯನ್ನು ಸೆರೆಮನೆಯಲ್ಲಿ ಕೇಳಿ, ಆತನ ಬಳಿಗೆ
ಶಿಷ್ಯರನ್ನು ಕಳುಹಿಸಿ ೩ ಬರಬೇಕಾದವನು ನೀನೋ ನಾವು ಬೇರೊಬ್ಬನ ದಾರಿಯನ್ನು
ನೋಡಬೇಕೋ ಎಂದು ಕೇಳಿದನು. ೪-೫ ಆತನು ಅವರಿಗೆ ಪ್ರತ್ಯುತ್ತರವಾಗಿ ಕುರುಡರಿಗೆ ಕಣ್ಣು
ಬರುತ್ತದೆ. ಸತ್ತವರು ಜೀವವನ್ನು ಹೊಂದುತ್ತಾರೆ ಬಡವರಿಗೆ ಸುವಾರ್ತೆ ಸಾರಲ್ಪಡುತ್ತದೆ. ನೀವು
ಹೋಗಿ ಕಂಡು ಕೇಳುವವುಗಳನ್ನು ಯೋಹಾನನಿಗೆ ತಿಳಿಸಿರಿ. ೬ ನನ್ನ
ವಿಷಯವಾಗಿ ಸಂಶಯಪಡದವನೇ ಧನ್ಯನು ಎಂದು ಹೇಳಿದನು.

೭ ಅವರು ಹೊರಟು ಹೋಗುತ್ತಿರಲು ಯೇಸು ಯೋಹಾನನ ವಿಷಯವಾಗಿ ಆ
ಜನರ ಗುಂಪುಗಳಿಗೆ ಹೇಳತೊಡಗಿದ್ದೇನಂದರೆ – ಏನು ನೋಡಬೇಕೆಂದು ಅಡವಿಗೆ
ಹೋಗಿದ್ದೀರಿ? ಗಾಳಿಯಿಂದ ಅಲ್ಲಾಡುವ ದಂಟನನ್ನೋ? ೮ ಅಲ್ಲವಾದರೆ ಏನು ನೋಡಬೇಕೆಂದು
ಹೋಗಿದ್ದೀರಿ? ನಯವಾದ ಉಡುಪನ್ನು ಹಾಕಿಕೊಂಡ ಮನುಷ್ಯನನ್ನೋ? ನಯವಾದ ಉಡುಪನ್ನು
ಉಟ್ಟುಕೊಂಡವರು ಅರಮನೆಗಳಲ್ಲಿ ಇರುತ್ತಾರಷ್ಟೆ. ೯ ಹಾಗಾದರೆ ಯಾತಕ್ಕೆ ಹೋಗಿದ್ದೀರಿ?
ಪ್ರವಾದಿಯನ್ನು ನೋಡುವದಕ್ಕೋ? ಹೌದು ಪ್ರವಾದಿಗಿಂತಲೂ ಹೆಚ್ಚಿನವನನ್ನು ನೋಡಿದಿರಿ
ಎಂದು ನಿಮಗೆ ಹೇಳುತ್ತೇನೆ. ೧೦ ಇಗೋ ನನ್ನ ದೂತನನ್ನು ನಿನ್ನ ಮುಂದೆ ಕಳುಹಿಸಿದ್ದೇನೆ. ನೀನು
ಹೋಗುವ ದಾರಿಯನ್ನು ಅವನು ನಿನ್ನ ಮುಂದೆ ಸರಿ ಮಾಡುವನು ಎಂದು ಯಾರ ವಿಷಯವಾಗಿ
ಬರೆದದೆಯೋ ಆ ಪುರುಷನು ಇವನೇ. ೧೧ ಸ್ತ್ರೀಯರಲ್ಲಿ ಹುಟ್ಟಿದವರೊಳಗೆ ಸ್ನಾನಿಕನಾದ
ಯೋಹಾನನಿಗಿಂತ ದೊಡ್ಡವನು ಎದ್ದಿಲ್ಲ ಆದರೂ ಪರಲೋಕರಾಜ್ಯದಲ್ಲಿರುವ ಚಿಕ್ಕವನು
ಅವನಿಗಿಂತಲೂ ದೊಡ್ಡವನೆಂದು ನಿಮಗೆ ಸತ್ಯವಾಗಿ ಹೇಳುತ್ತೇನೆ. ೧೨ ಇದಲ್ಲದೆ ಸ್ನಾನಿಕನಾದ
ಯೋಹಾನನ ಕಾಲದಿಂದ ಈ ವರೆಗೂ ಪರಲೋಕ ರಾಜ್ಯಬು ಬಲಾತ್ಕಾರಕ್ಕೆ ಗುರಿಯಾಗಿರುತ್ತದೆ.
ಬಲಾತ್ಕಾರಿಗಳು ನುಗ್ಗಿ ಅದನ್ನು ಸ್ವಾಧೀನಮಾಡಿಕೊಳ್ಳುತ್ತಾರೆ. ೧೩ ಪ್ರವಾದಿಗಳೆಲ್ಲರೂ
ಧರ್ಮಶಾಸ್ತ್ರವು ಪ್ರವಾದಿಸುವದು ಯೋಹಾನನ ತನಕ ಇತ್ತು ೧೪ ನಿಮಗೆ ಗ್ರಹಿಸುವದಕ್ಕೆ
ಮನಸ್ಸಿದ್ದರೆ ಬರತಕ್ಕ ಎಲೀಯನು ಇವನೇ ಎಂದು ತಿಳುಕೊಳ್ಳಿರಿ. ೧೫ ಕಿವಿಯುಳ್ಳವನು ಕೇಳಲಿ.
೧೬ ಆದರೆ ಈ ಸಂತತಿಯನ್ನು ಯಾರಿಗೆ ಹೋಲಿಸಲಿ? ಪೇಟೆಗಳಲ್ಲಿ ಕೂತುಕೊಂಡು ತಮ್ಮ
ಗೆಳೆಯರಿಗೆ – ನಿಮಗೋಸ್ಕರ ಕೊಳಲೂದಿದೆವು. ೧೭ ನೀವು ಕುಣಿಯಲಿಲ್ಲ ಗೋಳಾಡಿದೆವು
ನೀವು ಎದೆಬಡಕೊಳ್ಳಲಿಲ್ಲ. ಎಂದು ಕೂಗಿ ಹೇಳುವಂಥ ಹುಡುಗರನ್ನು ಹೋಲುತ್ತದೆ.
೧೮ ಹೇಗಂದರೆ ಯೋಹಾನನು ಬಂದನು ಅವನು ಅನ್ನ ಪಾನಗಳನ್ನು ತೆಗೆದುಕೊಳ್ಳದವನಾಗಿದ್ದನು.
ಅವರು ಅವನಿಗೆ – ದೆವ್ವ ಹಿಡಿದಿದೆ ಅನ್ನುತ್ತಾರೆ. ೧೯ ಮನುಷ್ಯಕುಮಾರನು ಬಂದನು. ಅವನು ಅನ್ನ
ಪಾನಗಳನ್ನು ತೆಗೆದುಕೊಳ್ಳುವವನಾಗಿದ್ದನು. ಅವರು ಇಗೋ ಇವನು ಹೊಟ್ಟೆಬಾಕನು ಕುಡುಕನು
ಭ್ರಷ್ಟರ ಮತ್ತು ಪಾಪಿಷ್ಠರ ಗೆಳೆಯನು ಅನ್ನುತ್ತಾರೆ. ಆದರೆ ಜ್ಞಾನವು ತನ್ನ ಕೆಲಸಗಳಿಂದ ಜ್ಞಾನವೇ
ಎಂದು ಗೊತ್ತಾಗುವದು ಅಂದನು.

ಯೇಸು ನಂಬಿಕೆಯಿಲ್ಲದವರಿಗಾಗಿ ದುಃಖಪಟ್ಟು ಎಲ್ಲರನ್ನು ತನ್ನ ಹತ್ತರಕ್ಕೆ ಕರೆದದ್ದು.
(ಲೂಕ ೧೦ ೧೨-೧೫ . ೨೧.೨೨ )

೨೦ ಆಗ ಆತನು ತನ್ನ ಮಹತ್ಕಾರ್ಯಗಳು ಬಹಳವಾಗಿ ನಡೆದ ಊರುಗಳು ದೇವರ ಕಡೆಗೆ
ತಿರುಗಲಿಲ್ಲವೆಂದು ಅವುಗಳನ್ನು ಗದರಿಸತೊಡಗಿದನು. ೨೧ ಹೇಗಂದರೆ – ಅಯ್ಯೋ
ಖೊರಾಜಿನೇ , ಅಯ್ಯೋ ಬೇತ್ಸಾಯಿದವೇ, ನಿಮ್ಮಲ್ಲಿ ನಡೆದ ಮಹತ್ಕಾರ್ಯಗಳು
ತೂರ ಮತ್ತು ಸೀದೋನ ಪಟ್ಟಣಗಳಲ್ಲಿ ನಡೆದಿದ್ದರೆ ಅಲ್ಲಿಯನರು ಆಗಲೇ ಗೋಣಿತಟ್ಟು
ಹೊದ್ದುಕೊಂಡು ಬೂದಿಯಲ್ಲಿ ಕೂತುಕೊಂಡು ದೇವರ ಕಡೆಗೆ ತಿರುಗಿಕೊಳ್ಳುತ್ತಿದ್ದರು. ೨೨ ಆದರೆ
ನ್ಯಾಯವಿಚಾರಣೆಯ ದಿನದಲ್ಲಿ ನಿಮ್ಮ ಗತಿಗಿಂತಲೂ ತೂರ ಸೀದೋನ ಪಟ್ಟಣಗಳ ಗತಿಯು
ಮೇಲಾಗಿರುವದು ಎಂದು ನಿಮಗೆ ಹೇಳುತ್ತೇನೆ. ೨೩ ಎಲೈ ಕಪೆನೌಮೇ ನೀನು ಪರಲೋಕಕ್ಕೆ
ಏರಿಸಲ್ಪಡುವಿಯಾ? ಪಾತಾಳಕ್ಕೆ ಇಳಿಯುವಿ. ನಿನ್ನಲ್ಲಿ ನಡೆದ ಮಹತ್ಕಾರ್ಯಗಳು ಸದೋಮಿನಲ್ಲಿ
ನಡೆದಿದ್ದರೆ ಅದು ಇಂದಿನ ವರೆಗೆ ಉಳಿಯುತ್ತಿತ್ತು. ೨೪ ಆದರೆ ನ್ಯಾಯವಿಚಾರಣೆಯ ದಿನದಲ್ಲಿ
ನಿಮ್ಮ ಗತಿಗಿಂತಲೂ ಸೀದೋಮ್ ಸೀಮೆಯ ಗತಿಯು ಮೇಲಾಗಿರುವದು ಎಂದು ನಿಮಗೆ
ಹೇಳುತ್ತೇನೆ ಅಂದನು.

೨೫ ಆ ಸಮಯದಲ್ಲಿ ಯೇಸು ಹೇಳಿದ್ದೇನಂದರೆ, ತಂದೆಯೇ ಪರಲೋಕ ಒಡಯನೇ ನೀನು
ಜ್ಞಾನಿಗಳಿಗೂ ಬುದ್ಧಿವಂತರಿಗೂ ಈ ಮಾತುಗಳನ್ನು ಮರೆಮಾಡಿ ಬಾಲಕರಿಗೆ ಪ್ರಕಟಮಾಡಿದ್ದಿ.
ಎಂದು ನಿನ್ನನ್ನು ಕೊಂಡಾಡುತ್ತೇನೆ. ೨೬ ಹೌದು ತಂದೆಯೇ ಹೀಗೆ ಮಾಡುವದೇ ಒಳ್ಳೇದೆಂದು
ನಿನ್ನ ದೃಷ್ಟಿಗೆ ತೋರಿದ್ದರಿಂದ ನಿನ್ನನ್ನು ಕೊಂಡಾಡುತ್ತೇನೆ. ೨೭ ನನ್ನ ತಂದೆಯು ಎಲ್ಲವನ್ನು ನನಗೆ
ಒಪ್ಪಿಸಿದ್ದಾನೆ. ತಂದೆಯ ಹೊರತು ಇನ್ನಾವನೂ ಮಗನನ್ನು ತಿಳಿದವನಲ್ಲ. ಮಗನೇ ಹೊರತು
ಇನ್ನಾವನೂ ತಂದೆಯನ್ನು ತಿಳಿದವನಲ್ಲ. ಮತ್ತು ಮಗನು ತಂದೆಯನ್ನು ಯಾರಿಗೆ ಪ್ರಕಟಿಸುವದಕ್ಕೆ
ಮನಸ್ಸುಳ್ಳವನಾಗಿದ್ದಾನೋ ಅವನೂ ಆತನನ್ನು ತಿಳಿದವನಾಗಿದ್ದಾನೆ.
೨೮ ಎಲ್ಲೈ ಕಷ್ಟಪಡುವವರೇ, ಹೊರೆಹೊತ್ತವರೇ, ನೀವೆಲ್ಲರೂ ನನ್ನ ಬಳಿಗೆ ಬನ್ನಿರಿ ನಾನು
ನಿಮಗೆ ವಿಶ್ರಾಂತಿ ಕೊಡುವೆನು. ೨೯ ನಾನು ಸಾತ್ವಿಕನೂ ದೀನಮನಸ್ಸುಳ್ಳವನೂ ಆಗಿರುವದರಿಂದ
ನನ್ನ ನೊಗವನ್ನು ನಿಮ್ಮ ಮೇಲೆ ತೆಗೆದುಕೊಂಡು ನನ್ನಲ್ಲಿ ಕಲಿತುಕೊಳ್ಳಿರಿ ೩೦ ಆಗ ನಿಮ್ಮ
ಆತ್ಮಗಳಿಗೆ ವಿಶ್ರಾಂತಿ ಸಿಕ್ಕುವದು. ಯಾಕಂದರೆ ನನ್ನ ನೊಗವು ಮೃದುವಾದದ್ದು ನನ್ನ ಹೊರೆಯು
ಹೌರವಾದದ್ದು ಅಂದನು.

### ಯೇಸು ಸಬ್ಬತ ದಿನವನ್ನು ಅಲಕ್ಷಮಾಡುತ್ತಾನೆಂದು ಫರಿಸಾಯರು ಆತನ ಮೇಲೆ ಆಕ್ಷೇಪಣೆ ಮಾಡಿದ್ದು.

(ಮಾರ್ಕ ೨.೨೩-,೫,೬ ಲೂಕ ೬,೧-೧೧)

## ೧೨

೧ ಆ ಕಾಲದಲ್ಲಿ ಯೇಸು ಸಬ್ಬತ್ ದಿನದಲ್ಲಿ ಪೈರಿನ ಹೊಲಗಳನ್ನು
ಹಾದುಹೋಗುತ್ತಿರುವಾಗ ಆತನ ಶಿಷ್ಯರು ಹಸಿದು ತೆನೆಗಳನ್ನು ಮುರುಕೊಂಡು
ತಿನ್ನುತ್ತಿದ್ದರು. ೨ ಫರಸಾಯರು ಅದನ್ನು ಕಂಡು – ನೋಡು ನಿನ್ನ ಶಿಷ್ಯರು ಸಬ್ಬತದಿನದಲ್ಲಿ
ಮಾಡಬಾರದ ಕೆಲಸವನ್ನು ಮಾಡುತ್ತಾರೆ ಎಂದು ಆತನಿಗೆ ಹೇಳಿದರು. ೩ ಆತನು ಅವರಿಗೆ
– ದಾವೀದನು ತಾನೂ ತನ್ನ ಸಂಗಡ ಇದ್ದವರ್ರೈ ಹಸಿದಾಗ ಏನು ಮಾಡಿದನೆಂಬದನ್ನು ನೀವು
ಓದಲಿಲ್ಲವೋ. ೪ ಅವನು ದೇವರ ಮಂದಿರದೊಳಕ್ಕೆ ಹೋಗಿ ಯಾಜಕರು ಮಾತ್ರವೇ
ಹೊರತು ತಾನಾಗಲಿ ತನ್ನ ಸಂಗಡ ಇದ್ದವರಾಗಲಿ ತಿನ್ನಬಾರದಾಗಿದ್ದ ನೈವೇದ್ಯದ ರೊಟ್ಟಿಗಳನ್ನು
ತಿಂದನಲ್ಲವೇ. ೫ ಇದಲ್ಲದೆ ಸಬ್ಬತ ದಿನದಲ್ಲಿ ಯಾಜಕರು ದೇವಾಲಯದಲ್ಲಿ ಸಬ್ಬತ ದಿನವನ್ನು
ಮಿಕ್ಕಾದ ದಿನಗಳಂತೆ ಮಾಡಿದಾಗ್ಯೂ ಅವರು ತಪ್ಪಿಗೆ ಗುರಿಯಾಗುವದಿಲ್ಲ. ಇದನ್ನು ನೀವು
ಧರ್ಮಶಾಸ್ತ್ರದಲ್ಲಿ ಓದಲಿಲ್ಲವೋ? ೬ ಆದರೆ ಇಲ್ಲಿ ದೇವಾಲಯಕ್ಕಿಂತ ಹೆಚ್ಚಿನವನು ಇದ್ದಾನೆಂದು
ನಿಮಗೆ ಹೇಳುತ್ತೇನೆ. ೭ ನನಗೆ ಯಜ್ಞವು ಬೇಡ, ಕರುಣೆಯೇ ಬೇಕು ಎಂಬದರ ಅರ್ಥವನ್ನು
ನೀವು ತಿಳಿದಿದ್ದರೆ ನಿರಪರಾಧಿಗಳನ್ನು ಅಪರಾಧಿಗಳೆಂದು ತೀರ್ಪುಮಾಡುತ್ತಿದ್ದಿಲ್ಲ.
೮ ಮನುಷ್ಯಕುಮಾರನು ಸಬ್ಬತದಿನಕ್ಕೆ ಒಡೆಯನಾಗಿದ್ದಾನೆಂದು ಹೇಳಿದನು.
೯ ಆತನುಅಲ್ಲಿಂದ ಹೊರಟು ಸಭಾಮಂದಿರಕ್ಕೆ ಹೋದಾಗ ಅಲ್ಲಿ ಕೈಬತ್ತಿದವನೊಬ್ಬನಿದ್ದನು.
೧೦ ಆಗ ಅವರು ಆತನ ಮೇಲೆ ತಪ್ಪು ಹೊರಿಸಬೇಕೆಂದು ಆತನನ್ನು –ಸಬ್ಬತ್ದಿನದಲ್ಲಿ ಸ್ವಸ್ಥಮಾಡುವದು
ಸರಿಯೋ ಎಂದು ಕೇಳಿದರು. ೧೧ ಅದಕ್ಕಾತನು – ನಿಮ್ಮಲ್ಲಿ ಯಾರಿಗಾದರೂ ಒಂದೇ ಒಂದು ಕುರಿ
ಇದ್ದು ಅದು ಸಬ್ಬತ್ ದಿನದಲ್ಲಿ ಕುಣಿಯೊಳಗೆ ಬಿದ್ದರೆ ಅವನು ಅದನ್ನು ಹಿಡಿದು ಮೇಲಕ್ಕೆ
ತೆಗೆಯದೇ ಇರುವನೇ? ೧೨ ಕುರಿಗಿಂತ ಮನುಷ್ಯನು ಎಷ್ಟೋ ಹೆಚ್ಚು. ಆದಕಾರಣ ಸಬ್ಬತ್ ದಿನದಲ್ಲಿ
ಒಳ್ಳೆ ಕೆಲಸ ಮಾಡುವದು ತಕ್ಕದ್ದೇ ಸರಿ ಎಂದು ಉತ್ತರ ಕೊಟ್ಟನು. ೧೩ ಆ ಮನುಷ್ಯನಿಗೆ ನಿನ್ನ
ಕೈ ಚಾಚು ಎಂದು ಹೇಳಿದನು.ಅವನು ಚಾಚಿದನು. ಅದು ಸಂಪೂರ್ಣವಾಸಿಯಾಗಿ ಮತ್ತೊಂದರ
ಹಾಗಾಯಿತು. ೧೪ ಆದರೆ ಫರಿಸಾಯರು ಹೊರಕ್ಕೆ ಹೋಗಿ ಇವನನ್ನು ಯಾವ ಉಪಾಯದಿಂದ
ಕೊಲ್ಲೋಣ ಎಂದು ಆಲನಿಗೆ ವಿರೋಧವಾಗಿ ಆಲೋಚನೆಮಾಡಿಕೊಂಡರು. ೧೫ ಯೇಸು
ಅದನ್ನು ತಿಳಿದು ಅಲ್ಲಿಂದ ಹೊರಟು ಹೋದನು.

### ಯೇಸುವಿನ ಡಂಭವಿಲ್ಲದ ಸ್ವಭಾವ

೧೬ ಅನೇಕರು ಆತನ ಹಿಂದೆ ಹೋದರು ಆತನು ಅವರೆಲ್ಲರನ್ನು ಸ್ವಸ್ಥಮಾಡಿ ತಾನು
ಇಂಥವನೆಂಬದಾಗಿ ಯಾರಿಗೂ ಪ್ರಕಟಿಸಬಾರದೆಂದು ಅವರಿಗೆ ಖಂಡಿತವಾಗಿ ಹೇಳಿದನು.
೧೭ ಹೀಗೆ ಯೆಶಾಯನೆಂಬ ಪ್ರವಾದಿಯ ಮೂಲಕ ಹೇಳಿಸಿರುವ ಮಾತು ನೆರವೇರಿತು
ಅದೇನಂದರೆ - ೧೮ ಇಗೋ, ನನ್ನ ಸೇವಕನು ಈತನನ್ನು ನಾನು ಆರಿಸಿಕೊಂಡೆನು. ಈತನು ನನಗೆ
ಇಷ್ಟನು, ನನ್ನ ಪ್ರಾಣಪ್ರಿಯನು. ಈತನಲ್ಲಿ ನನ್ನ ಆತ್ಮವನ್ನು ಇರಿಸುವೆನು. ಈತನು ಅನ್ಯಜನಗಳಿಗೂ

ನ್ಯಾಯವಿಧಿಯನ್ನು ಸಾರುವನು. ೧೯ ಈತನು ಜಗಳಾಡುವದಿಲ್ಲ ಕೂಗಾಡುವದಿಲ್ಲ. ಬೀದಿಗಳಲ್ಲಿ
ಈತನ ಧ್ವನಿಯು ಯಾರಿಗೂ ಕೇಳಿಸುವದಿಲ್ಲ. ೨೦ ಜಜ್ಜಿದ ದಂಟನ್ನು ಮುರಿದುಹಾಕದೆಯೂ
ಆರಿಹೋಗುತ್ತಿರುವ ದೀಪವನ್ನು ನಂದಿಸದೆಯೂ ನ್ಯಾಯವನ್ನು ದಿಗ್ವಿಜಯಕ್ಕಾಗಿ ಕಳುಹಿಸಿ
ಕೊಡುವನು. ೨೧ ಅನ್ಯಜನರು ಈತನ ಹೆಸರನ್ನು ಕೇಳಿ ನಿರೀಕ್ಷೆಯಿಂದಿರುವರು.

ಫರಿಸಾಯರು ಯೇಸುವನ್ನು ದೂಷಿಸಿದ್ದು.ಸೂಚಕಕಾರ್ಯವನ್ನು ನೋಡಬೇಕೆಂದು ಹೇಳಿದ್ದು.

(ಮಾರ್ಕ ೩.೨೨-೩೦; ಲೂಕ ೧೧. ೧೪-೩೨; ೧೨.೧೦)

೨೨ ದೆವ್ವ ಹಿಡಿದ ಕುರುಡನೂ ಮೂಕನೂ ಆಗಿರುವ ಒಬ್ಬನನ್ನು ಆತನ ಬಳಿಗೆ ಕರತಂದರು.
ಆಲನು ಅವನನ್ನು ಸ್ವಸ್ಥಮಾಡಲು ಆಮೂಕನಿಗೆ ಬಾಯಿ ಕಣ್ಣು ಎರಡೂ ಬಂದವು. ೨೩ ಅದಕ್ಕೆ
ಜನರೆಲ್ಲರೂ ಬೆರಗಾಗಿ ಈತನು ದಾವೀದನ ಕುಮಾರನೇನು ಎಂದು ಮಾತಾಡುತ್ತಿದ್ದರು. ೨೪ ಆದರೆ
ಫರಿಸಾಯರು ಅದನ್ನು ಕೇಳಿ, ಇವನು ದೆವ್ವಗಳ ಒಡೆಯನಾದ ಬೆಲ್ಜೆಬೂಲನ ಸಹಾಯದಿಂದ
ದೆವ್ವಗಳನ್ನು ಬಿಡಿಸುತ್ತಾನೆ ಹೊರತು ಬೇರೆ ರೀತಿಯಿಂದ ಬಿಡಿಸುವದಿಲ್ಲ ಅಂದನು. ೨೫ ಆತನು
ಅವರ ಆಲೋಚನೆಯನ್ನು ತಿಳುಕೊಂಡು ಅವರಿಗೆ ಹೇಳಿದ್ದೇನಂದರೆ – ಯಾವ ರಾಜ್ಯವಾದರೂ
ತನ್ನಲ್ಲಿ ಭೇಧಹುಟ್ಟಿದರೆ ಹಾಳಾಗುವದು. ತನ್ನಲ್ಲಿ ಭೇಧ ಹುಟ್ಟಿದ ಯಾವ ಪಟ್ಟಣವಾದರೂ
ಮನೆಯಾದರೂ ನಿಲ್ಲದು. ೨೬ ಅದರಂತೆ ಸೈತಾನನು ಸೈತಾನನನ್ನು ಹೊರಡಿಸಿದರೆ ತನ್ನಲ್ಲಿ
ಭೇಧ ಹುಟ್ಟಿಸಿಕೊಂಡ ಹಾಗಾಯಿತು. ೨೭ ಹಾಗಾದರೆ ಅವನ ರಾಜ್ಯ ಹೇಗೆ ಉಳಿದೀತು? ನಾನು
ಬೆಲ್ಜೆಬೂಲನ ಸಹಾಯದಿಂದ ದೆವ್ವಗಳನ್ನು ಬಿಡಿಸುವದಾದರೆ ನಿಮ್ಮವರು ಯಾರ ಬಲದಿಂದ
ಬಿಡಿಸುತ್ತಾರೆ? ಆದದರಿಂದ ಅವರೇ ನಿಮಗೆನ್ಯಾಯತೀರಿಸುವವರಾಗುವರು. ೨೮ ನಾನು ದೇವರ
ಆತ್ಮನ ಬಲದಿಂದಲೇ ದೆವ್ವಗಳನ್ನು ಬಿಡಿಸುವದಾದರೆ ದೇವರ ರಾಜ್ಯವು ನಿಮ್ಮ ಹತ್ತಿರಕ್ಕೆ
ಬಂತಲ್ಲಾ ೨೯ ಇದಲ್ಲದೆ ಒಬ್ಬನು ಮೊದಲು ಬಲಿಷ್ಠನ್ನು ಕಯ್ಯಿಹಾಕದೆ ಆಬಲಿಷ್ಠನ ಮನೆಯನ್ನು
ಹೊಕ್ಕು ಅವನ ಸೊತ್ತನ್ನು ಸುಲುಕೊಳ್ಳುವದು ಹೇಗೆ? ಕಟ್ಟಿಹಾಕಿದ ಮೇಲೆ ಅವನ ಮನೆಯನ್ನು
ಸುಲುಕೊಂಡಾನು. ೩೦ ನನ್ನ ಪಕ್ಷ ಹಿಡಿಯದವನು ನನಗೆ ವಿರೋಧಿ. ನನ್ನ ಜೊತೆಯಲ್ಲಿ
ಒಟ್ಟುಗುಡಿಸದವನು ಚದುರಿಸುವವನಾಗಿದ್ದಾನೆ. ೩೧ ಆದಕಾರಣ ನಿಮಗೆ ಹೇಳುತ್ತೇನೆ
ಮನುಷ್ಯರು ಮಾಡುವ ಪ್ರತಿಯೊಂದು ಪಾಪಕ್ಕೂ ದೂಷಣೆಗೂ ಕ್ಷಮಾಪಣೆ ಉಂಟಾಗುವದು.
ಆದರೆ ಪವಿತ್ರಾತ್ಮದೂಷಣೆಗೆ ಕ್ಷಮಾಪಣೆಯಿಲ್ಲ. ೩೨ ಯಾವನಾದರೂ ಮನುಷ್ಯಕುಮಾರನಿಗೆ
ವಿರೋಧವಾಗಿ ಮಾತಾಡಿದರೆ ಅದು ಅವನಿಗೆ ಕ್ಷಮಿಸಲ್ಪಡುವದು, ಪವಿತ್ರಾತ್ಮನಿಗೆ
ವಿರೋಧವಾಗಿ ಮಾತಾಡಿದರೆ ಅವನಿಗೆ ಇಹದಲ್ಲಾಗಲಿ ಪರದಲ್ಲಾಗಲಿ ಕ್ಷಮಿಸಲ್ಪಡುವದಿಲ್ಲ.
೩೩ ಮರ ಒಳ್ಳೇದಂದರೆ ಅದರ ಫಲವು ಒಳ್ಳೇದೆನ್ನಿರಿ. ಮರ ಹುಳುಕು ಅಂದರೆ ಅದರ ಫಲವು
ಹುಳುಕು ಅನ್ನಿರಿ. ಫಲದಿಂದಲೇ ಮರದ ಗುಣವು ಗೊತ್ತಾಗುವದು. ೩೪ ಸರ್ಪಜಾತಿಯವರೇ ನೀವು
ಕೆಟ್ಟವರಾಗಿರಲಾಗಿ ಒಳ್ಳೆಯ ಮಾತುಗಳನ್ನಾಡುವದಕ್ಕೆ ನಿಮ್ಮಿಂದ ಹೇಗಾದೀತು? ಹೃದಯದಲ್ಲಿ
ತುಂಬಿರುವದೇ ಬಾಯಲ್ಲಿ ಹೊರಡುವದು. ೩೫ ಒಳ್ಳೆಯವನು ತನ್ನ ಒಳ್ಳೆಯ ಬೊಕ್ಕಸದೊಳಗಿಂದ
ಒಳ್ಳೆಯ ವಸ್ತುಗಳನ್ನು ತೆಗೆಯುತ್ತಾನೆ. ಕೆಟ್ಟವನು ಕೆಟ್ಟ ಬೊಕ್ಕಸದೊಳಗಿಂದ ಕೆಟ್ಟ ವಸ್ತುಗಳನ್ನು
ತೆಗೆಯುತ್ತಾನೆ. ೩೬ ಇದಲ್ಲದೆ ನಾನು ನಿಮಗೆ ಹೇಳುವದೇನಂದರೆ, ಮನುಷ್ಯನು ಸುಮ್ಮನೆ ಆಡುವ
ಪ್ರತಿಯೊಂದು ಮಾತಿನ ವಿಷಯವಾಗಿ ನ್ಯಾಯವಿಚಾರಣೆಯ ದಿನದಲ್ಲಿ ಉತ್ತರ ಕೊಡಬೇಕು.
೩೭ ನಿನ್ನ ಮಾತುಗಳಿಂದಲೇ ನೀತಿವಂತನೆಂದು ತೀರ್ಪು ಹೊಂದುವಿ. ನಿನ್ನ ಮಾತುಗಳಿಂದಲೇ
ಅಪರಾಧಿಯೆಂದು ತೀರ್ಪು ಹೊಂದುವಿ ಅಂದನು.

೩೮ ಆಗ ಶಾಸ್ತ್ರಿಗಳಲ್ಲಿಯೂ ಫರಿಸಾಯರಲ್ಲಿಯೂ ಕೆಲವರು – ಬೋಧಕನೇ, ನಿನ್ನಿಂದಾಗುವ
ಒಂದು ಸೂಚಕ ಕಾರ್ಯವನ್ನು ನೋಡಬೇಕೆಂದು ನಮಗೆ ಅಪೇಕ್ಷೆಯಿದೆ ಎಂದು ಆತನನ್ನು
ಕೇಳಲಾಗಿ ಆತನು ಅವರಿಗೆ- ಉತ್ತರಕೊಟ್ಟದ್ದೇನಂದರೆ, ೩೯ ವ್ಯಭಿಚಾರಣಿಯಂತಿರುವ ಈ ಕೆಟ್ಟ
ಸಂತತಿಯು ಸೂಚಕಕಾರ್ಯವನ್ನು ನೋಡಬೇಕೆಂದು ಅಪೇಕ್ಷಿಸುತ್ತದೆ. ಆದರೆ ಯೋನನೆಂಬ
ಪ್ರವಾದಿಯಲ್ಲಿ ಆದ ಸೂಚಕಕಾರ್ಯವೇ ಹೊರತು ಬೇರೆ ಯಾವದೂ ಇದಕ್ಕೆ ಸಿಕ್ಕುವದಿಲ್ಲ.
೪೦ ಅಂದರೆ ಯೋನನು ಹೇಗೆ ಮೂರು ದಿನ ರಾತ್ರಿ ಹಗಲು ಭೂಗರ್ಭದೊಳಗೆ ಇರುವನು.
೪೧ ನ್ಯಾಯ ವಿಚಾರಣೆಯಲ್ಲಿ ನಿನೆವೆ ಪಟ್ಟಣದವರು ಈ ಸಂತತಿಯವರೊಂದಿಗೆ ನಿಂತು
ಇವರನ್ನು ಅಪರಾಧಿಗಳೆಂದು ಹೇಳುವರು. ಅವರು ಯೋನನು ಸಾರಿದ ವಾಕ್ಯವನ್ನು ಕೇಳಿ
ದೇವರ ಕಡೆಗೆ ತಿರುಗಿಕೊಂಡರು. ಆದರೆ ಇಲ್ಲಿ ಯೋನನಿಗಿಂತಲೂ ಹೆಚ್ಚಿನವನಿದ್ದಾನೆ.
೪೨ ದಕ್ಷಿಣ ದೇಶದ ರಾಣಿಯು ನ್ಯಾಯವಿಚಾರಣೆಯಲ್ಲಿ ಈ ಸಂತತಿಯವರೊಂದಿಗೆ

ಎದ್ದು ನಿಂತು ಇವರನ್ನು ಅಪರಾಧಿಗಳೆಂದು ಹೇಳುವರು. ಆಕೆಯು ಸೊಲೊಮೋನನ
ಜ್ಞಾನವನ್ನು ತಿಳುಕೊಳ್ಳುವದಕ್ಕೆ ಭೂಮಿಯ ಕಟ್ಟಕಡೆಯಿಂದ ಬಂದಳು. ಆದರೆ ಇಲ್ಲಿ
ಸೊಲೊಮೋನನಿಗಿಂತ ಹೆಚ್ಚಿನವನಿದ್ದಾನೆ.

೪೩ ದೆವ್ವವು ಮನುಷ್ಯನನ್ನು ಬಿಟ್ಟು ಹೋದ ಮೇಲೆ ವಿಶ್ರಾಂತಿಯನ್ನು ಹುಡುಕುತ್ತಾ ನೀರಿಲ್ಲೊ
ಸ್ಥಳಗಳಲ್ಲಿ ತಿರುಗಾಡುತ್ತದೆ. ೪೪ ವಿಶ್ರಾಂತಿ ಸಿಕ್ಕದ ಕಾರಣ ಅದು ನಾನು ಬಿಟ್ಟು ಬಂದ ನನ್ನ ಮನೆಗೆ
ತಿರಿಗಿ ಹೋಗುತ್ತೇನೆ ಅಂದುಕೊಂಡು ಬಂದು ಆ ಮನೆ ಒಕ್ಕಲಿಲ್ಲದ್ದೂ ಗುಡಿಸಿ ಅಲಂಕರಿಸಿದ್ದೂ
ಆಗಿರುವದನ್ನು ಕಂಡು, ೪೫ ಹೊರಟುಹೋಗಿ ತನಗಿಂತ ಕೆಟ್ಟವುಗಳಾದ ಬೇರೆ ಏಳು ದೆವ್ವಗಳನ್ನು
ತನ್ನೊಂದಿಗೆ ಕರಕೊಂಡು ಬರುವದು. ಅವು ಒಳ ಹೊಕ್ಕು ಅಲ್ಲಿ ವಾಸ ಮಾಡುವವು. ಆಗ ಆ
ಮನುಷ್ಯನ ಅಂತ್ಯ ಸ್ಥಿತಿಯು ಮೊದಲಿಗಿಂತ ಕೆಟ್ಟದಾಗುವದು . ಇದರಂತೆಯೇ ಈ ಕೆಟ್ಟ
ಸಂತತಿಯು ಆಗುವದು ಅಂದನು.

ದೇವರ ಚಿತ್ತವನ್ನು ಅನುಸರಿಸುವವರೇ ತನ್ನ ಸಂಬಂಧಿಕರೆಂದು ಯೇಸು ಹೇಳಿದ್ದು.

(ಮಾರ್ಕ ೩. ೩೧-೩೫; ಲೂಕ ೮.೧೯-೨೧)

೪೬ ಆತನು ಜನರ ಗುಂಪುಗಳ ಸಂಗಡ ಇನ್ನೂ ಮಾತಾಡುತ್ತಿರುವಾಗ ಆತನ ತಾಯಿಯೂ
ತಮ್ಮಂದಿರೂ ಆತನನ್ನು ಮಾತಾಡಿಸಬೇಕೆಂದು ಹೊರಗೆ ನಿಂತಿದ್ದರು. ೪೭ ಆಗ ಒಬ್ಬನು –
ಇಗೋ ನಿನ್ನ ತಾಯಿಯೂ ಅಣ್ಣತಮ್ಮಂದಿರೂ ನಿನ್ನನ್ನು ಮಾತಾಡಿಸಬೇಕೆಂದು ಹೊರಗೆ
ನಿಂತಿರುತ್ತಾರೆ ಅಂದನು. ೪೮ ಅದಕ್ಕಾತನು ಆ ಮಾತು ಹೇಳಿದವನಿಗೆ –ನನಗೆ ತಾಯಿ ಯಾರು?
ನನಗೆ ಅಣ್ಣತಮ್ಮಂದಿರು ಯಾರು? ಎಂದು ಹೇಳಿ ಶಿಷ್ಯರ ಕಡೆಗೆ ಕೈ ತೋರಿಸಿ, ೪೯ ಇಗೋ
ನನ್ನ ತಾಯಿ.ನನ್ನ ಅಣ್ಣತಮ್ಮಂದಿರು. ೫೦ ಪರಲೋಕದಲ್ಲಿರುವ ನನ್ನ ತಂದೆಯ ಚಿತ್ತದಂತೆ
ನಡೆಯುವವನೇ ನನಗೆ ತಮ್ಮನೂ ತಂಗಿಯೂ ಆಗಬೇಕು ಅಂದನು.

ಪರಲೋಕರಾಜ್ಯದ ಕುರಿತು ಸಾಮ್ಯಗಳು

(ಮಾರ್ಕ ೪. ೧-೨೦ ,೩೦-೩೪ . ಲೂಕ ೮.೪-೧೫ , ೧೩.೧೮,೧೯)

೧೩ ೧ ಆ ದಿವಸದಲ್ಲಿ ಯೇಸು ಮನೆಯಿಂದ ಹೊರಟು ಸಮುದ್ರದ ದಡದಲ್ಲಿ
ಕೂತುಕೊಂಡನು. ೨ ಬಹಳ ಜನರು ಆತನ ಬಳಿಗೆ ಕೂಡಿಬಂದದರಿಂದ ಆತನು ದೋಣಿ
ಹತ್ತಿ ಕೂತುಕೊಂಡನು. ಆ ಜನರೆಲ್ಲರೂ ದಡದಲ್ಲಿ ನಿಂತಿದ್ದರು. ೩ ಆಗ ಆತನು ಅವರಿಗೆ ಸಾಮ್ಯ
ರೂಪವಾಗಿ ಅನೇಕ ಸಂಗತಿಗಳನ್ನು ಹೇಳಿದನು. ಹೇಗಂದರೆ –

೪ ಕೇಳಿರಿ ಬಿತ್ತುವವನು ಬಿತ್ತುವದಕ್ಕೆ ಹೊರಟನು. ಅವನು ಬಿತ್ತುವಾಗ ಕೆಲವು ಬೀಜ ದಾರಿ
ಮಗ್ಗುಲಲ್ಲಿ ಬಿದ್ದವು. ಹಕ್ಕಿಗಳು ಬಂದು ಅವುಗಳನ್ನು ತಿಂದು ಬಿಟ್ಟವು. ೫ ಕೆಲವು ಬೀಜ ಬಹಳ
ಮಣ್ಣಿಲ್ಲದ ಬಂಡೆಯ ನೆಲದಲ್ಲಿ ಬಿದ್ದವು. ಅವು ಮಣ್ಣು ತಳ್ಳಗಿದದರಿಂದ ಅವು ಬೇಗ ಮೊಳೆತವು.
೬ ಆದರೆ ಬಿಸಿಲೇರಿದಾಗ ಬಾಡಿ ಬೇರಿಲ್ಲದ ಕಾರಣ ಒಣಗಿಹೋದವು. ೭ ಮತ್ತೆ ಕೆಲವು ಬೀಜ
ಮುಳ್ಳುಗಿಡಗಳಲ್ಲಿ ಬಿದ್ದವು ಮುಳ್ಳುಗಿಡಗಳು ಬೆಳೆದು ಅವುಗಳನ್ನು ಅಡಗಿಸಿಬಿಟ್ಟವು. ೮ ಇನ್ನು
ಕೆಲವು ಒಳ್ಳೆಯ ನೆಲದಲ್ಲಿ ಬಿದ್ದು ಒಂದು ನೂರರಷ್ಟು ಒಂದು ಅರವತ್ತರಷ್ಟು, ಒಂದು ಮೂವತ್ತರಷ್ಟು
ಫಲವನ್ನು ಕೊಟ್ಟವು. ೯ ಕಿವಿಯುಳ್ಳವನು ಕೇಳಲಿ ಅಂದನು.

೧೦ ತರುವಾಯ ಆತನ ಶಿಷ್ಯರು ಬಂದು – ಯಾಕೆ ಅಆಮ್ಯರೂಪವಾಗಿ ಅವರ ಸಂಗಡ ಮಾತಾಡುತ್ತೀ
ಎಂದು ಕೇಳಿದರು. ೧೧ ಅದಕ್ಕಾತನು ಅವರಿಗೆ – ಪರಲೋಕರಾಜ್ಯದ ಗುಟ್ಟುಗಳನ್ನು ತಿಳಿಯುವ
ವರವು ನಿಮಗೇ ಕೊಟ್ಟದೆ ಅವರಿಗೆ ಕೊಟ್ಟಿಲ್ಲ. ೧೨ ಯಾಕಂದರೆ ಇದ್ದವನಿಗೆ ಕೊಡಲ್ಪಡುವದು
ಅವನಿಗೆ ಮತ್ತೂ ಹೆಚ್ಚಾಗುವದು ಇಲ್ಲದವನ ಕಡೆಯಿಂದ ಇದ್ದದ್ದೂ ತೆಗೆಯಲ್ಪಡುವದು. ೧೩ ನಾನು
ಅವರ ಸಂಗಡ ಸಾಮ್ಯರೂಪವಾಗಿ ಮಾತಾಡುವದಕ್ಕೆ ಕಾರಣವೇನಂದರೆ ಅವರಿಗೆ ಕಣ್ಣಿದ್ದರೂ
ನೋಡುವದಿಲ್ಲ. ಕಿವಿಯಿದ್ದರೂ ಕೇಳುವದಿಲ್ಲ ಮತ್ತು ತಿಳುಕೊಳ್ಳುವದಿಲ್ಲ. ೧೪ ಯೆಶಾಯನು
ಹೇಳಿದ ಪ್ರವಾದನೆಯು ಅವರಲ್ಲಿ ನೆರವೇರುತ್ತದೆ. ಅದೇನಂದರೆ- ನೀವು ಕಿವಿ ಇದ್ದು
ಕೇಳಿದರೂ ತಿಳುಕೊಳ್ಳುವದೇ ಇಲ್ಲ. ಕಣ್ಣಿದ್ದು ನೋಡಿದರೂ ಕಾಣುವದೇ ಇಲ್ಲ. ೧೫ ಈ ಜನರ
ಹೃದಯವು ಕೊಬ್ಬಿತು. ಇವರ ಕಿವಿ ಮಂದವಾಯಿತು. ಇವರು ಕಣ್ಣು ಮುಚ್ಚಿಕೊಂಡಿದ್ದಾರೆ. ತಾವು
ಕಣ್ಣಿನಿಂದ ಕಂಡು ಕಿವಿಯಿಂದ ಕೇಳಿ ಹೃದಯದಿಂದ ತಿಳಿದು ನನ್ನ ಕಡೆಗೆ ತಿರುಗಿಕೊಂಡು
ನನ್ನಿಂದ ಸ್ವಸ್ಥತೆಯನ್ನು ಹೇಗೂ ಹೊಂದಬಾರದೆಂದು ಮಾಡಿಕೊಂಡಿದ್ದಾರೆ ಎಂಬುದೆ.

೧೬ ಆದರೆ ನಿಮ್ಮ ಕಣ್ಣು ಕಾಣುತ್ತದೆ ನಿಮ್ಮ ಕಿವಿ ಕೇಳುತ್ತದೆ. ಆದದರಿಂದ ನೀವು ಧನ್ಯರು.
೧೭ ನಿಮಗೆ ಸತ್ಯವಾಗಿ ಹೇಳುತ್ತೇನೆ. ನೀಬು ನೋಡುತ್ತಿರುವ ಕಾರ್ಯಗಳನ್ನು ಬಹು ಮಂದಿ
ಪ್ರವಾದಿಗಳೂ ಸತ್ಪುರುಷರು ನೋಡಭೆಕೆಂದು ಅಪೇಕ್ಷಿಸಿದರೂ ನೋಡಲಿಲ್ಲ. ನೀವು
ಕೇಳುತ್ತಿರುವ ಸಂಗತಿಗಳನ್ನು ಅವರು ಕೇಳಬೇಕೆಂದು ಅಪೇಕ್ಷಿಸಿದರೂ ಕೇಳಲಿಲ್ಲ.
೧೮,೧೯ ಬಿತ್ತುವವನ ವಿಷಯವಾದ ಸಾಮ್ಯದ ಅರ್ಥವನ್ನು ಕೇಳಿರಿ. ಯಾವನಾದರೂ
ಪರಲೋಕ ರಾಜ್ಯದ ವಾಕ್ಯವನ್ನು ಕೇಳಿ ತಿಳುಕೊಳ್ಳದೆ ಇರುವಲ್ಲಿ ಸೈತಾನನು ಬಂದು ಆ
ಮನುಷ್ಯನ ಮನಸ್ಸಿನಲ್ಲಿ ಬಿತ್ತಿದ್ದನ್ನು ತೆಗೆದು ಹಾಕುತ್ತಾನೆ. ಈ ಮನುಷ್ಯನೇ ಬೀಜ ಬಿದ್ದ
ದಾರಿ ಮಗ್ಗುಲಾಗಿರುವನು. ೨೦ ಒಬ್ಬನು ವಾಕ್ಯವನ್ನು ಕೇಳಿದ ಕೂಡಲೆ ಸಂತೋಷದಿಂದ ಅದನ್ನು
ಸ್ವೀಕರಿಸುತ್ತಾನೆ. ೨೧ ತನಗೆ ಬೇರಿಲ್ಲದ ಕಾರಣ ಇವನು ಸ್ವಲ್ಪ ಕಾಲ ಮಾತ್ರವೇ ಇದ್ದು ಆ ವಾಕ್ಯದ
ನಿಮಿತ್ತವಾಗಿ ಸಂಕಟವಾಗಲಿ ಹಿಂಸೆಯಾಗಲಿ ಬಂದರೆ ಬೇಗ ಎಡವಿ ಬೀಳುತ್ತಾನೆ. ಇವನೇ
ಬೀಜ ಬಿದ್ದ ಬಂಡೆಯ ನೆಲವಾಗಿರುವವನು. ೨೨ ಒಬ್ಬನು ವಾಕ್ಯವನ್ನು ಕೇಳಿದಾಗ್ಯೂ ಪ್ರಪಂಚದ
ಚಿಂತೆಯು ಐಶ್ವರ್ಯದಿಂದುಂಟಾಗುವ ಮೋಸವೂ ಆವಾಕ್ಯವನ್ನು ಅಡಗಿಸಿಬಿಡುವದರಿಂದ
ಫಲವನ್ನು ಕೊಡದೇ ಇರುತ್ತಾನೆ. ಇವನೇ ಮುಳ್ಳು ಗಿಡಗಳಲ್ಲಿ ಬೀಜ ಬಿದ್ದ ನೆಲವಾಗಿರುವವನು.
೨೩ ಒಬ್ಬನು ವಾಕ್ಯವನ್ನು ಕೇಳಿ ತಿಳುಕೊಂಡು ಫಲವಂತನಾಗಿ ನೂರರಷ್ಟಾಗಲಿ ಅರವತ್ತರಷ್ಟಾಗಲಿ,
ಮೂವತ್ತರಷ್ಟಾಗಲಿ ಫಲವನ್ನು ಕೊಡುತ್ತಾನೆ. ಇವನೇ ಒಳ್ಳೆಯ ನೆಲವಾಗಿರುವವನು ಎಂದು
ಹೇಳಿದನು.
೨೪ ಆತನು ಮತ್ತೊಂದು ಸಾಮ್ಯವನ್ನು ಅವರಿಗೆ ಹೇಳಿದನು. ಅದೇನಂದರೆ ಪರಲೋಕರಾಜ್ಯವು
ಒಳ್ಳೆಯ ಬೀಜವನ್ನು ತನ್ನ ಹೊಲದಲ್ಲಿ ಬಿತ್ತಿದ್ದ ಒಬ್ಬ ಮನುಷ್ಯನಿಗೆ ಹೋಲಿಕೆಯಾಗಿದೆ.
೨೫ ಆದರೆ ಜನರು ನಿದ್ರೆ ಮಾಡುವ ಕಾಲದಲ್ಲಿ ಅವನ ವೈರಿಯು ಬಂದು ಗೋದಿಯ ನಡುವೆ
ಹಣಜಿ ಬಿತ್ತಿ ಹೋದನು. ೨೬ ಗೋದಿಯು ಬೆಳೆದು ಫಲಕ್ಕೆ ಬಂದಾಗ ಹಣಜಿ ಸಹ ಕಾಣ ಬಂತು.
೨೭ ಆಗ ಯಜಮಾನನ ಆಳುಗಳು ಅವನ ಬಳಿಗೆ ಬಂದು – ಅಯ್ಯಾ ನೀನು ನಿನ್ನ ಹೊಲದಲ್ಲಿ
ಒಳ್ಳೆ ಬೀಜ ಬಿತ್ತಿದಿಯಲ್ಲಾ ಹಣಜ ಎಲ್ಲಿಂದ ಬಂತು ಎಂದು ಕೇಳಲು, ೨೮ ಅವನು – ಇದು ಒಬ್ಬ
ವೈರಿ ಮಾಡಿದ ಕೆಲಸ ಅನ್ನಲಾಗಿ ಆಳುಗಳು ಅವನನ್ನು – ಹಾಗಾದರೆ ನಾವು ಅದನ್ನು ಆರಿಸಿ
ತೆಗೆಯಣೋಣ ಎಂದು ಕೇಳಲು ೨೯ ಅವನು – ಬೇಡ , ಹಣಜಿಯನ್ನು ಆರಿಸಿ ತೆಗೆಯುವಾಗ ಅದರ
ಸಂಗಡ ಗೋದಿಯನ್ನೆಲ್ಲಾದರೂ ಕಿತ್ತೀರಿ. ೩೦ ಸುಗ್ಗಿ ಕಾಲದ ತನಕ ಎರಡೂ ಕೂಡ ಬೆಳೆಯಲಿ.ಸುಗ್ಗೀ
ಕಾಲದಲ್ಲಿ ನಾನು ಕೊಯ್ಯುವವರಿಗೆ – ಮೊದಲು ಹಣಜಿಯನ್ನು ಆರಿಸಿ ತೆಗೆದು ಅಪನ್ನು
ಸುಡುವದಕ್ಕೆ ಹೊರಕಟ್ಟಿ ಹಾಕಿ, ಗೋದಿಯನ್ನು ನನ್ನ ಕಣಜಕ್ಕೆ ತುಂಬಿರಿ ಎಂದು ಹೇಳುವೆನು
ಅಂದನು
೩೧ ಆತನು ಮತ್ತೊಂದು ಸಾಮ್ಯವನ್ನು ಅವರಿಗೆ ಹೇಳಿದನು. ಅದೇನಂದರೆ, - ಪರಲೋಕರಾಜ್ಯವು
ಸಾಸಿವೆ ಕಾಳಿಗೆ ಹೋಲಿಕೆಯಾಗಿದೆ. ಒಬ್ಬ ಮನುಷ್ಯನು ಅದನ್ನು ತೆಗೆದುಕೊಂಡು ಹೋಗಿ
ತನ್ನ ಹೊಲದಲ್ಲಿ ಬಿತ್ತಿದನು. ೩೨ ಅದು ಎಲ್ಲ ಬೀಜಗಳಿಗಿಂತಲೂ ಸಣ್ಣದಾಗಿದೆ. ಬೆಳೆದ ಮೇಲೆ
ಕಾಯಿಪಲ್ಯದ ಗಿಡಗಳಿಗಿಂತ ದೊಡ್ಡದಾಗಿ ಮರವಾಗುತ್ತದೆ. ಆಕಾಶದಲ್ಲಿ ಹಾರಾಡುವ ಪಕ್ಷಿಗಳು
ಬಂದು ಅದರ ಕೊಂಬೆಗಳಲ್ಲಿ ವಾಸ ಮಾಡುತ್ತವೆ. ೩೩ ಆತನು ಮತ್ತೊಂದು ಸಾಮ್ಯವನ್ನು ಅವರಿಗೆ
ಹೇಳಿದನು. ಅದೇನಂದರೆ, - ಪರಲೋಕರಾಜ್ಯವು ಹುಳಿಹಿಟ್ಟಿಗೆ ಹೋಲಿಕೆಯಾಗಿದೆ. ಅದನ್ನು
ಒಬ್ಬ ಹೆಂಗಸು ತಕ್ಕೊಂಡು ಮೂರು ಸೇರು ಹಿಟ್ಟಿನಲ್ಲಿ ಕಲಸಿಡಲು ಆ ಹಿಟ್ಟೆಲ್ಲಾ ಹುಳಿಯಾಯಿತು.
೩೪ ಯೇಸು ಈ ಮಾತುಗಳನ್ನೆಲ್ಲಾ ಜನರ ಗುಂಪುಗಳಿಗೆ ಸಾಮ್ಯರೂಪವಾಗಿ ಹೇಳಿದನು.
ಸಾಮ್ಯವಿಲ್ಲದೆ ಒಂದನ್ನೂ ಹೇಳಲಿಲ್ಲ. ಹೀಗೆ – ೩೫ ನಾನು ಬಾಯಿತೆರೆದು ಸಾಮ್ಯರೂಪವಾಗಿ
ಉಪದೇಶಿಸುವೆನು. ಲೋಕಾಧಿಯಿಂದ ಮರೆಯಾಗಿದ್ದವುಗಳನ್ನು ಹೊರಪಡಿಸುವೆನು.
ಎಂದು ಒಬ್ಬ ಪ್ರವಾಧಿಯ ಮುಖಾಂತರ ನುಡಿದ ಮಾತು ನೆರವೇರಿತು. ೩೬ ಆಗ ಯೇಸು
ಜನರನ್ನು ಬಿಟ್ಟು ಮನೆಗೆ ಹೋದ ಮೇಲೆ ಆತನ ಶಿಷ್ಯರು ಬಂದು – ಹೊಲದಲ್ಲಿಯ ಹಣಜಿಯ
ಸಾಮ್ಯದ ಅರ್ಥವನ್ನು ನಮಗೆ ಹೇಳು ಅಂದರು. ೩೭ ಅದಕ್ಕಾತನು – ಒಳ್ಳೆಯ ಬೀಜವನ್ನು
ಬಿತ್ತುವವನಂದರೆ ಮನುಷ್ಯಕುಮಾರನು. ೩೮ ಹೊಲವೆಂದರೆ ಈ ಲೋಕ. ಒಳ್ಳೆಯ ಬೀಜವೆಂದರೆ
ಪರಲೋಕ ರಾಜ್ಯದವರು. ೩೯ ಹಣಜಿಯೆಂದರೆ ಸೈತಾನನವರು. ಅದನ್ನು ಬಿತ್ತುವ ವೈರಿ
ಎಂದರೆ ಸೈತಾನನು. ಸುಗ್ಗಿಯ ಕಾಲವೆಂದರೆ ಯುಗದ ಸಮಾಪ್ತಿ. ಕೊಯ್ಯುವವರು ಅಂದರೆ
ದೇವದೂತರು. ೪೦ ಹೇಗಿರಲಾಗಿ ಹೇಗೆ ಹಣಜಿಯನ್ನು ಆರಿಸಿ ತೆಗೆದು ಸುಟ್ಟುಬಿಡುತ್ತಾರೋ
ಹಾಗೇಯೇ ಯುಗದ ಸಮಾಪ್ತಿಯಲ್ಲಿ ನಡೆಯುವದು. ೪೧ ಮನುಷ್ಯ ಕುಮಾರನು ತನ್ನ ದೂತರನ್ನು

ಕಳುಹಿಸುವನು. ಅವರು ಆತನ ರಾಜ್ಯದೊಳಗಿಂದ ಎಲ್ಲಾ ಕಂಟಕರನ್ನೂ ಅಧರ್ಮಿಗಳನ್ನೂ ಕೂಡಿಸಿ
ಬೆಂಕೀಕೊಂಡದಲ್ಲಿ ಹಾಕುವರು. ೪೨ ಅಲ್ಲಿ ಗೋಳಾಟವೂ ಕಟಕಟನೆ ಹಲ್ಲು ಕಡಿಯೋಣವೂ
ಇರುವವು ೪೩ ಆಗ ನೀತಿವಂತರು ತಮ್ಮ ತಂದೆಯ ರಾಜ್ಯದಲ್ಲಿ ಸೂರ್ಯನಂತೆ ಪ್ರಕಾಶಿಸುವರು.
ಕಿವಿಯುಳ್ಳವನು ಕೇಳಲಿ ಅಂದನು.

೪೪ ಪರಲೋಕರಾಜ್ಯವು ಹೊಲದಲ್ಲಿ ಹೂಳಿಟ್ಟ ದ್ರವ್ಯಕ್ಕೆ ಹೋಲಿಕೆಯಾಗಿದೆ. ಒಬ್ಬನು
ಅದನ್ನು ಕಂಡುಕೊಂಡು ಮುಚ್ಚಿಬಿಟ್ಟು ಅದರಿಂದಾದ ಸಂತೋಷದಿಂದ ತನ್ನ ಬದುಕನ್ನೆಲ್ಲಾ ಮಾರಿ
ಆಹೊಲವನ್ನು ಕೊಂಡುಕೊಂಡನು. ೪೫ ಮತ್ತು ಪರಲೋಕ ರಾಜ್ಯವು ಉತ್ತಮವಾದ ಮುತ್ತುಗಳನ್ನು
ಹುಡುಕುವ ವ್ಯಾಪಾರಸ್ಥನಿಗೆ ಹೋಲಿಕೆಯಾಗಿದೆ. ೪೬ ಅವನು ಬಹು ಬೆಲೆಯುಳ್ಳ ಒಂದು ಮುತ್ತನ್ನು
ಕಂಡು ತನ್ನ ಬದುಕನ್ನೆಲ್ಲಾ ಮಾರಿ ಬಂದು ಅದನ್ನು ಕೊಂಡುಕೊಂಡನು.

೪೭ ಮತ್ತು ಪರಲೋಕ ರಾಜ್ಯವು ಒಂದು ಬಲೆಗೆ ಹೋಲಿಕೆಯಾಗಿದೆ. ಅದನ್ನು ಸಮುದ್ರದಲ್ಲಿ
ಹಾಕಿ ಎಲ್ಲಾ ಜಾತಿಯ ಮೀನುಗಳನ್ನು ಹಿಡಿದರು. ೪೮ ಅದು ತುಂಬಿದ ಮೇಲೆ ಅದನ್ನು ದಡಕ್ಕೆ
ಎಳೆದು ಕೂತುಕೊಂಡು ಒಳಸಳೆಯ ಮೀನುಗಳನ್ನು ಅಲ್ಲಿ ಪುಟ್ಟಿಗಳಲ್ಲಿ ತುಂಬಿಕೊಂಡು
ಕೆಟ್ಟ ಮೀನುಗಳನ್ನು ಬಸಾಟುಬಿಟ್ಟರು. ೪೯ ಹಾಗೇಯೇ ಯುಗದ ಸಮಾಪ್ತಿಯಲ್ಲಿ ಆಗುವದು.
ದೇವದೂತರು ಹೊರಟು ಬಂದು ನೀತಿವಂತರೊಳಗಿಂದ ಕೆಟ್ಟವರನ್ನು ಬೇರೆ ಮಾಡಿ ಅವರನ್ನಯ
ಬೆಂಕೀ ಕೊಂಡದಲ್ಲಿ ಹಾಕುವರು. ೫೦ ಅಲ್ಲಿ ಗೋಳಾಟವೂ ಕಟಕಟನೆ ಹಲ್ಲು ಕಡಿಯೋಣವೂ
ಇರುವವು

೫೧ ಈ ಎಲ್ಲಾ ಮಾತುಗಳ ಅರ್ಥವು ನಿಮಗೆ ತಿಳಿಯಿತೋ ಎಂದು ಕೇಳಲು ಅವರು –
ತಿಳಿಯಿತು ಅಂದರು. ೫೨ ಆಗ ಆತನು ಅವರಿಗೆ - ಹೀಗಿರಲಾಗಿ ಪರಲೋಕ ರಾಜ್ಯದ
ವಿಷಯವಾಗಿ ಉಪದೇಶಹೊಂದಿ ಶಿಕ್ಷಿತನಾದ ಪ್ರತಿಯೊಬ್ಬ ಶಾಸ್ತ್ರೋಪದೇಶಕನು ಮನೆ
ಯಜಮಾನನಿಗೆ ಹೋಲಿಕೆಯಾಗಿದ್ದಾನೆ. ಅವನು ತನ್ನ ಬೊಕ್ಕಸದೊಳಗಿಂದ ಹೊಸ ವಸ್ತುಗಳನ್ನು
ಹಳೇ ವಸ್ತುಗಳನ್ನೂ ಹೊರಗೆ ತರುತ್ತಿರುವನು ಎಂದು ಹೇಳಿದನು.

೫೩ ಯೇಸು ಈ ಸಾಮ್ಯಗಳನ್ನು ಮುಗಿಸಿದ ಮೇಲೆ ಅಲ್ಲಿಂದ ಹೊರಟು ಹೋದನು.

### ಯೇಸುವಿನ ಸ್ವಂತ ಊರಿನವರು ಆತನನ್ನು ತಾತ್ಸಾರ ಮಾಡಿದ್ದು.

(ಮಾರ್ಕ ೬. ೧-೬; ಲೂಕ ೪. ೧೫-೩೦ )

೫೪ ತರುವಾಯ ಆತನು ತನ್ನ ಊರಿಗೆ ಬಂದು ಅಲ್ಲಿರುವ ಸಭಾಮಂದಿರದಲ್ಲಿ ಜನರಿಗೆ
ಉಪದೇಶಮಾಡುತ್ತಿದ್ದನು. ಅವರು ಕೇಳಿ ಅತ್ಯಾಶ್ಚರ್ಯ ಪಟ್ಟು- ಇವನಿಗೆ ಈ ಜ್ಞಾನವೂ ಈ
ಮಹತ್ಕಾರ್ಯಗಳೂ ಎಲ್ಲಿಂದ ಬಂದಿದ್ದಾವು? ೫೫ ಇವನು ಆ ಬಡಗಿಯ ಮಗನಲ್ಲವೇ ? ಇವನ
ತಾಯಿ ಮರಿಯಳೆಂಬವಳಲ್ಲವೇ. ಯಾಕೋಬ ಯೋಸೇಫ ಸೀಮೋನ ಯೂದ ಇವರು ಇವನ
ತಮ್ಮಂದಿರಲ್ಲವೇ ೫೬ ಇವನ ತಂಗಿಯರೆಲ್ಲರು ನಮ್ಮಲ್ಲಿ ಇದ್ದರಲ್ಲವೇ ಹಾಗದರೆ ಇವೆಲ್ಲಾ ಇವನಿಗೆ
ಎಲ್ಲಿಂದ ಬಂದೀದ್ದಾವು? ಎಂದು ಮಾತಾಡಿಕೊಂಡು ಆತನ ವಿಷಯವಾಗಿ ಬೇಸರಗೊಂಡರು.
೫೭ ಆದರೆ ಯೇಸು ಅವರಿಗೆ ಪ್ರವಾಧಿಯು ಬೇರೆ ಎಲ್ಲಿದ್ದರೂ ಅವನಿಗೆ ಮರ್ಯಾದೆ ಉಂಟು.
ಆದರೆ ಸ್ವದೇಶದಲ್ಲಿಯೂ ಸ್ವಂತ ಮನೆಯಲ್ಲಿಯೂ ಮಾತ್ರ ಮರ್ಯಾದೆ ಇಲ್ಲ ಅಂದನು. ೫೮ ಅವರು
ಆತನನ್ನು ನಂಬದೇ ಹೋದದರಿಂದ ಆತನು ಅಲ್ಲಿ ಅನೇಕ ಮಹತ್ಕಾರ್ಯಗಳನ್ನು ಮಾಡಲಿಲ್ಲ

### ಅರಸನಾದ ಸ್ನಾನಿಕವಾದ ಯೋಹಾನನ್ನು ಕೊಲ್ಲಿಸಿದ ಮೇಲೆ ಯೇಸುವಿನ ಸುದ್ದಿಯನ್ನು ಕೇಳಿ ದಿಗಿಲುಪಟ್ಟದ್ದು.

(ಮಾರ್ಕ ೬. ೧೪-೨೦; ಲೂಕ ೯. ೭-೯ )

೧೪ ೧ ಆ ಕಾಲದಲ್ಲಿ ಉಪರಾಜನಾದ ಹೆರೋದನು ಯೇಸುವಿನ ಸುದ್ದಿಯನ್ನು ಕೇಳಿ
ತನ್ನ ಪರಿವಾರದವರಿಗೆ – ೨ ಇವನು ಸ್ನಾನಿಕನಾದ ಯೋಹಾನನು ತಿರುಗಿ ಬದುಕಿ
ಬಂದಿದ್ದಾನೆ. ಆದಕಾರಣ ಮಹತ್ಕಾರ್ಯಗಳನ್ನು ನಡಿಸುವ ಶಕ್ತಿಗಳು ಅವನಲ್ಲಿ ಅವೆ ಎಂದು
ಹೇಳಿದನು. ೩ ಹೆರೋದನು ಹೆರೋದ್ಯಳ ನಿಮಿತ್ತ ಯೋಹಾನನನ್ನು ಹಿಡಿದು ಕಟ್ಟಿಸಿ
ಸೆರೆಯಲ್ಲಿ ಹಾಕಿಸಿದ್ದನು. ಆ ಹೆರೋದ್ಯಳು ಹೆರೋದನ ಅಣ್ಣನಾದ ಫಿಲಿಪ್ಪನ ಹೆಂಡತಿ.
೪ ಯೋಹಾನನು ಹೆರೋದನಿಗೆ ನೀನು ಇವಳನ್ನು ಇಟ್ಟುಕೊಂಡಿರುವದು ಧರ್ಮವಲ್ಲವೆಂದು
ಹೇಳುತ್ತಿದ್ದನು. ೫ ಹೆರೋದನು ಅವನನ್ನು ಕೊಲ್ಲಿಸಬೇಕೆಂದಿದ್ದರೂ ಜನರು ಅವಣ್ನು
ಪ್ರವಾಧಿಯೆಂದು ಎಣಿಸಿದ್ದರಿಂದ ಅವರಿಗೆ ಭಯಪಟ್ಟು ಕೊಲ್ಲಿಸಲಿಲ್ಲ. ೬ ಆದರೆ ಹೆರೋದನ

ಹುಟ್ಟಿದ ದಿನದ ಹಬ್ಬವು ನಡೆಯುವಾಗ ಹೆರೋದ್ಯಳ ಮಗಳು ಬಂದವರ ಮುಂದೆ ನಾಟ್ಯವಾಡಿ
ಹೆರೋದನನ್ನು ಮೆಚ್ಚಿಸಿದ್ದರಿಂದ, ೭ ಅವನು ಅವಳಿಗೆ ನೀನು ಏನು ಕೇಳಿಕೊಂಡರೂ
ಕೊಡುತ್ತೇನೆಂದು ಆಣೆಮಾಡಿ ಮಾತು ಕೊಟ್ಟನು. ೮ ಆಗ ಅವಳು ತನ್ನ ತಾಯಿಯ
ಭೋಧನೆಯನ್ನು ಕೇಳಿ – ಇಲ್ಲಿಯೇ ಸ್ನಾನಿಕನಾದ ಯೋಹಾನನ ತಲೆಯನ್ನು ಪರಾತಿನಲ್ಲಿ
ನನಗೆ ತರಿಸಿಕೊಡು ಅಂದಳು. ೯ ಆ ಮಾತಿಗೆ ಅರಸನು ದುಃಖಪಟ್ಟರೂ ತಾನು ಇಟ್ಟುಕೊಂಡ
ಆಣೆಗಳ ನಿಮಿತ್ತವಾಗಿಯೂ ತನ್ನ ಸಂಗಡ ಪಙ್ತಿಯಲ್ಲಿ ಕೂತಿದ್ದವರ ನಿಮಿತ್ತವಾಗಿಯೂ ಅದನ್ನು
ತಂದುಕೊಡುವದಕ್ಕೆ ಅಪ್ಪಣೆ ಕೊಟ್ಟನು. ೧೦ ಮತ್ತು ಆಳುಗಳನ್ನು ಕಳುಹಿಸಿ ಸೆರೆಮನೆಯಲ್ಲಿ
ಯೋಹಾನನ ತಲೆಯನ್ನು ಹೊಯಿಸಿದನು. ೧೧ ಅವರು ಅವನ ತಲೆಯನ್ನು ಪರಾತಿನಲ್ಲಿ ತಂದು
ಆ ಹುಡುಗಿಗೆ ಕೊಟ್ಟರು. ಅವಳು ಅದನ್ನು ತನ್ನ ತಾಯಿಯ ಬಳಿಗೆ ತಕ್ಕೊಂಡು ಹೋದಳು
೧೨ ಯೋಹಾನನ ಶಿಷ್ಯರು ಬಂದು ಅವನ ಶವವನ್ನು ಹೊತ್ತುಕೊಂಡು ಹೋಗಿ ಹೂಣಿಟ್ಟು
ಯೇಸುವಿನ ಬಳಿಗೆ ಬಂದು ತಿಳಿಸಿದರು.

### ಯೇಸು ಐದು ಸಾವಿರ ಜನರಿಗೆ ಊಟ ಮಾಡಿಸಿದ್ದು. ಸಮುದ್ರದ ಮೇಲೆ ನಡೆದದ್ದು.

(ಮಾರ್ಕ ೬.೩೧ – ೫೬; ಲೂಕ ೯. ೧೦- ೧೭; ಯೋಹಾ ೬. ೧- ೨೧ )

೧೩ ಯೇಸು ಅದನ್ನು ಕೇಳಿ ದೋಣಿಯನ್ನು ಹತ್ತಿ ಆ ಸ್ಥಳವನ್ನು ಬಿಟ್ಟು ಪಿಂಗಡವಾಗಿ
ಅಡವಿಗೆ ಹೋದನು. ಇದನ್ನು ಕೇಳಿದ ಜನರು ಗುಂಪು ಗುಂಪಾಗಿ ತಮ್ಮ ತಮ್ಮ ಊರುಗಳಿಂದ
ಕಾಲುನಡಿಗೆಯಿಂದ ಆತನ ಹಿಂದೆ ಬಂದರು. ೧೪ ಆತನು ಹೊರಗೆ ಮಂದು ಬಹು ಜನರ ಗುಂಪನ್ನು
ಕಂಡು ಕನಿಕರಹಟ್ಟು ಅವರಲ್ಲಿದ್ದ ರೋಗಿಗಳನ್ನು ಸ್ವಸ್ಥಮಾಡಿದನು. ೧೫ ಸಂಜೆಯಾದಾಗ ಶಿಷ್ಯರು
ಆತನ ಬಳಿಗೆ ಬಂದು – ಇದು ಅಡವಿ ಈಗ ಹೊತ್ತು ಹೋಯಿತು ಈ ಗುಂಪಿಗೆ ಅಪ್ಪಣೆ ಕೊಡು.
ಅವರು ಹಳ್ಳಿ ಪಳ್ಳಿಗಳಿಗೆ ಹೋಗಿ ಆಹಾರ ಪದಾರ್ಥಗಳನ್ನು ಕೊಂಡು ಕೊಳ್ಳಲಿ ಎಂದು ಹೇಳಲಾಗಿ,
೧೬ ಯೇಸು ಅವರು ಹೋಗುವದು ಅಗತ್ಯವಿಲ್ಲ. ನೀವೇ ಅವರಿಗೆ ಊಟಕ್ಕೆ ಕೊಡಿರಿ ಅಂದನು.
೧೭ ಅದಕ್ಕವರು – ಇಲ್ಲಿ ಐದು ರೊಟ್ಟಿ ಎರಡು ಮೀನು ಹೊರತು ಮತ್ತೇನೂ ಇಲ್ಲ ಅನ್ನಲಾಗಿ,
೧೮ ಆತನು – ಅವುಗಳನ್ನು ಇಲ್ಲಿ ನನಗೆ ತಂದು ಕೊಡಿರಿ ಅಂದನು. ೧೯ ಮತ್ತು ಜನರಿಗೆ ಹುಲ್ಲಿನ
ಮೇಲೆ ಕೂತುಕೊಳ್ಳುವದಕ್ಕೆ ಹೇಳಿ ಆ ಐದು ರೊಟ್ಟಿ ಎರಡು ಮೀನುಗಳನ್ನು ತಕ್ಕೊಂಡು ಆಕಾಶದ
ಕಡೆಗೆ ನೋಡಿ ದೇವರ ಸ್ತೋತ್ರ ಮಾಗಿ ರೊಟ್ಟಿಗಳನ್ನು ಮುರಿದು ಶಿಷ್ಯರ ಕೈಗೆ ಕೊಟ್ಟನು. ಶಿಷ್ಯರು
ಜನರ ಗುಂಪಿಗೆ ಕೊಟ್ಟರು. ೨೦ ಅವರೆಲ್ಲರೂ ಊಟಮಾಡಿ ತೃಪ್ತರಾದರು ಮಿಕ್ಕ ತುಂಡುಗಳನ್ನು
ಕೂಡಿಸಲಾಗಿ ಹನ್ನೆರಡು ಪುಟ್ಟಿ ತುಂಬಿತು. ೨೧ ಊಟಮಾಡಿದವರು ಹೆಂಗಸರೂ ಮಕ್ಕಳೂ ಅನ್ನದೆ
ಗಂಡಸರೇ ಹೆಚ್ಚು ಕಡಿಮೆ ಐದು ಸಾವಿರ ಮಂದಿ.
೨೨ ಇದು ಆದ ಕೂಡಲೆ ಆತನು ತನ್ನ ಶಿಷ್ಯರಿಗೆ ನಾನು ಈ ಜನರ ಗುಂಪುಗಳನ್ನು
ಕಳುಹಿಸಿಬಿಡುವಷ್ಟರೊಳಗೆ ನೀವು ದೋಣಿಯನ್ನು ಹತ್ತಿ ಮುಂದಾಗಿ ಆಚೆದಡಕ್ಕೆ ಹೋಗಿರಿ
ಎಂದು ಬಲವಂತ ಮಾಡಿದನು. ೨೩ ಆತನು ಜನರ ಗುಂಪುಗಳನ್ನು ಕಳುಹಿಸಿಬಿಟ್ಟ ಮೇಲೆ ಪ್ರಾರ್ಥನೆ
ಮಾಡುವದಕ್ಕಾಗಿ ಏಕಾಂತವಾಗಿ ಬೆಟ್ಟವನ್ನು ಹತ್ತಿದನು. ಮತ್ತು ಹೊತ್ತು ಮುಳುಗಿದ ಮೇಲೆ
ಒಬ್ಬನೇ ಅಲ್ಲಿ ಇದ್ದನು. ೨೪ ಅಷ್ಟರಲ್ಲಿ ದೋಣಿಯು ಭೂಮಿಗೆ ಬಹು ದೂರ ಹೋಗಿತ್ತು. ಮತ್ತು
ಎದುರು ಗಾಳಿ ಬಿಸುತ್ತಿದ್ದದರಿಂದ ತೆರೆಗಳ ಬಡಿತಕ್ಕೆ ಸಿಕ್ಕಿ ಒದ್ದಾಡುತ್ತಿತ್ತು. ೨೫ ರಾತ್ರಿ ನಾಲ್ಕನೆಯ
ಜಾವದಲ್ಲಿ ಯೇಸು ಸಮುದ್ರದ ಮೇಲೆ ನಡೆದು ಅವರ ಕಡೆಗೆ ಬಂದನು. ೨೬ ಸಮುದ್ರದ ಮೇಲೆ
ನಡೆಯುವ ಆತನನ್ನು ಶಿಷ್ಯರು ನೋಡಿ ಬೂತವೆಂದು ತತ್ತರಿಸಿ ಭಯದಿಂದ ಕೂಗಿದರು.
೨೭ ಕೂಡಲೆ ಯೇಸು ಮಾತಾಡಿ ಅವರಿಗೆ – ಧೈರ್ಯವಾಗಿರಿ ನಾನು ಅಂಜಬೇಡಿರಿ ಎಂದು
ಹೇಳಿದನು. ೨೮ ಅದಕ್ಕೆ ಪೇತ್ರನು ಸ್ವಾಮೀ ನೀನೇಯಾದರೆ ನನಗೆ ನೀರಿನ ಮೇಲೆ ನಡೆದು
ನಿನ್ನ ಬಳಿಗೆ ಬರುವದಕ್ಕೆ ಅಪ್ಪಣೆ ಕೊಡು ಅನ್ನಲು , ೨೯ ಆತನು ಬಾ ಅಂದನು. ಆಗ ಪೇತ್ರನು
ಯೇಸುವಿನ ಬಳಿಗೆ ಹೋಗುವದಕ್ಕೆ ದೋಣಿಯಿಂದ ಇಳಿದು ನೀರಿನ ಮೇಲೆ ನಡೆದನು.
೩೦ ಆದರೆ ಗಾಳಿಯನ್ನು ನೋಡಿ ಭಯಪಟ್ಟು ಮುಣುಗುತ್ತಾ - ಸ್ವಾಮೀ ನನ್ನನ್ನು ಕಾಪಾಡು ಎಂದು
ಕೂಗಿಕೊಂಡನು. ೩೧ ಆ ಕ್ಷಣವೇ ಯೇಸು ಕೈಚಾಚಿ ಅವನನ್ನು ಹಿಡಿದು ಅಲ್ಪ ವಿಶ್ವಾಸಿಯೇ
ಯಾಕೆ ಸಂದೇಹ ಪಟ್ಟೆ ಎಂದು ಹೇಳಿದನು. ೩೨ ತರುವಾಯ ಅವರು ದೋಣಿಯನ್ನು ಹತ್ತಿದ
ಮೇಲೆ ಗಾಳಿ ನಿಂತು ಹೊಯಿತು. ೩೩ ಆಗ ದೋಣಿಯಲ್ಲಿದ್ದವರು ನಿಜವಾಗಿ ನೀನು
ದೇವಕುಮಾರನು ಎಂದು ಹೇಳಿ ಆತನಿಗೆ ನಮಸ್ಕರಿಸಿದರು.

೩೪ ಅವರುಸಮುದ್ರವನ್ನು ದಾಟಿ ಗೆನೆಜರೇತ ದೇಶದ ದಡಕ್ಕೆ ಮುಟ್ಟಿದರು. ೩೫ ಆ
ಸ್ಥಳದವರು ಆತನ ಗುರುತನ್ನು ಹುಡಿದು ಆಸುತ್ತಲಿನ ಸೀಮೆಗೆಲ್ಲಾ ಹೇಳಿ ಕಳುಹಿಸಿ
ಮೈಯಲ್ಲಿ ನೆಟ್ಟಗಿಲ್ಲದವರೆಲ್ಲರನ್ನು ಆತನ ಬಣಿಗೆ ಕರೆತರಿಸಿ ೩೬ ಆತನನ್ನು ನಿನ್ನ ಉಡುಪಿನ
ಗೊಂಡೆಯನ್ನಾದರೂ ಮುಟ್ಟಗೊಡಿಸಬೇಕೆಂದು ಬೇಡಿಕೊಂಡರು. ಮುಟ್ಟಿದವರೆಲ್ಲರು
ಸ್ವಸ್ಥರಾದರು.

## ಊಟದಿಂದ ಮನುಷ್ಯನು ಕೆಡುವದಿಲ್ಲವೆಂದು ಯೇಸು ಭೋದಿಸಿದ್ದು

(ಮಾರ್ಕ ೭ ; ೧-೨೩)

೧೫ ೧ ಆಗ ಯೇಸು ಯೆರೂಸಲೇಮಿನಿಂದ ಫರಿಸಾಯರೂ ಶಾಸ್ತ್ರಿಗಳೂ ಯೇಸುವಿನ
ಬಳಿಗೆ ಬಂದು – ೨ ನಿನ್ನ ಶಿಷ್ಯರು ಹಿರಿಯರಿಂದ ಬಂದ ಸಂಪ್ರದಾಯವನ್ನು
ಯಾಕೆ ಮೀರುತ್ತಾರೆ? ಅವರು ಕೈ ತೊಳಕೊಳ್ಳದೆ ಆಹಾರ ತೆಗೆದುಕೊಳ್ಳುತ್ತಾರಲ್ಲಾ
ಎಂದು ಕೇಳಿದ್ದಕ್ಕೆ ೩ ಆತನು ಅವರಿಗೆ ಉತ್ತರ ಕೊಟ್ಟದ್ದೇನಂದರೆ – ನೀವು ಸಹ ನಿಮ್ಮ
ಸಂಪ್ರದಾಯದ ನಿಮಿತ್ತ ದೇವರ ಆಜ್ಞೆಯನ್ನು ಯಾಕೆ ಮೀರುತ್ತೀರಿ? ೪ ಹೇಗಂದರೆ ತಂದೆ
ತಾಯಿಗಳನ್ನು ಸನ್ಮಾನಿಸಬೇಕೆಂತಲೂ ತಂದೆಯನ್ನಾಗಲಿ ತಾಯಿಯನ್ನಾಗಲಿ ದೂಷಿಸುವವನಿಗೆ
ಮರಣದಂಡನೆ ಆಗಬೇಕೆಂತಲೂ ದೇವರು ಹೇಳಿದ್ದಾನೆ. ೫ ನೀವೋ ಯಾವನಾದರೂ ತನ್ನ
ತಂದೆಯನ್ನಾಗಲಿ ತಾಯಿಯನ್ನಾಗಲಿ ನೋಡಿ – ನಾನು ನಿನ್ನ ಸಂರಕ್ಷಣೆಗಾಗಿ ಕೊಡತಕ್ಕದ್ದನ್ನು
ದೇವರಿಗಗಿ ಇಟ್ಟಿದ್ದೇನೆ ಎಂದು ಹೇಳುವದಾದರೆ ೬ ಅವನಿಗೆ ತನ್ನ ತಂದೆತಾಯಿಗಳನ್ನು
ಸನ್ಮಾನಿಸಬೇಕಾದದ್ದಿಲ್ಲ ಅನ್ನುತ್ತೀರಿ. ಹೀಗೆ ನಿಮ್ಮ ಸಂಪ್ರದಾಯದ ನಿಮಿತ್ತ ದೇವರ
ವಾಕ್ಯವನ್ನು ನಿರರ್ಥಕ ಮಾಡಿದ್ದೀರಿ. ೭ ಕಪಟಿಗಳೇ, ನಿಮ್ಮ ವಷಯದಲ್ಲಿ ಯೆಶಾಯನು
ವಿಹಿತವಾಗಿ ಪ್ರವಾದಿಸಿದ್ದಾನೆ. ಅವನು ಬರೆದಿದ್ದೇನಂದರೆ- ೮ ಈಜನರು ಮಾತಿನಿಂದ ನನ್ನನ್ನು
ಸನ್ಮಾನಿಸುತ್ತಾರೆ ಆದರೆ ಅವರ ಮನಸ್ಸು ನನಗೆ ದೂರವಾಗಿದೆ. ೯ ಮನುಷ್ಯರು ಕಲ್ಪಿಸಿದ
ಕಟ್ಟಳೆಗಳನ್ನೆ ಅವರು ಭೋದಿಸಿರುವದರಿಂದ ನನಗೆ ಭಕ್ತಿ ತೋರಿಸುವದು ವ್ಯರ್ಥ ಎಂಬದೇ.
೧೦ ಆ ಮೇಲೆ ಯೇಸು ಜನರ ಗುಂಪನ್ನು ಹತ್ತಿರಕ್ಕೆ ಕರೆದು ಅವರಿಗೆ – ಕಿವಿಗೊಟ್ಟು ಕೇಳಿರಿ
ತಿಳುಕೊಳ್ಳಿರಿ. ೧೧ ಬಾಯೊಳಕ್ಕೆ ಹೋಗುವಂಥದ್ದು ಮನುಷ್ಯನನ್ನು ಹೊಲೆ ಮಾಡುವದಿಲ್ಲ.
ಬಾಯೊಳಗಿಂದ ಹೊರಡುವಂಥದ್ದೆ ಮನುಷ್ಯನನ್ನು ಹೊಲೆ ಮಾಡುವದು. ಎಂದು ಹೇಳಿದನು.
೧೨ ಆಗ ಶಿಷ್ಯರು ಬಂದು ಆತನನ್ನು – ಫರಿಸಾಯರು ಈ ಮಾತನ್ನು ಕೇಳಿ ಬೇಸರಗೊಂಡರೆಂದು
ನಿನಗೆ ಗೊತ್ತಾಯಿತೋ ಎಂದು ಕೇಳಿದರು. ೧೩ ಅದಕ್ಕೆ ಆತನು ಪರಲೋಕದಲ್ಲಿರುವ ನನ್ನ
ತಂದೆಯು ನೆಡದೆ ಇರುವ ಗಿಡಗಳೆಲ್ಲಾ ಬೇರಿನೊಂದಿಗೆ ಕಿತ್ತುಹಾಕಲ್ಪಡುವವು. ೧೪ ಅವರ
ಮಾತನ್ನು ಬಿಡಿರಿ ತಾವೇ ಕುರುಡರು ಮತ್ತೊಬ್ಬರಿಗೆ ದಾರಿ ತೋರಿಸುವದಕ್ಕೆ ಹೋಗುತ್ತಾರೆ.
ಕುರುಡನು ಕುರುಡನಿಗೆ ದಾರಿ ತೋರಿಸಿದರೆ ಅವರಿಬ್ಬರೂ ಕುಣಿಯಲ್ಲಿ ಬೀಳುವರು
ಅಂದನು. ೧೫ ಆಗ ಪೇತ್ರನು ಈ ಸಾಮ್ಯದ ಅರ್ಥವನ್ನು ನಮಗೆ ಹೇಳುಅನ್ನಲು, ೧೬ ಆತನು –
ನಿಮಗೂ ಇನ್ನೂ ಬುದ್ಧಿ ಇಲ್ಲವೇ? ೧೭ ಬಾಯೋಳಕ್ಕೆ ಹೋಗುವಂಥದ್ದು ಹೊಟ್ಟೆಯಲ್ಲಿ ಸೇರಿ
ಬಹಿರ್ದೇಶಕ್ಕೆ ಹೋಗುತ್ತದೆಂದು ನಿಮಗೆ ತಿಳಿಯಲಿಲ್ಲವೋ? ೧೮ ಆದರೆ ಬಾಯೊಳಗಿಂದ
ಹೊರಡುವಂಥವುಗಳು ಮನಸ್ಸಿನೊಳಗಿಂದ ಬರುತ್ತವೆ. ಇವೇ ಮನುಷ್ಯನನ್ನು ಕೊಲೆ ಮಾಡುವವು.
೧೯ ಹೇಗೆಂದರೆ ಮನಸ್ಸಿನೊಳಗಿಂದ ಕೆಟ್ಟ ಆಲೋಚನೆ ಕೊಲೆ ಹಾದರ ಸೂಳೆಗಾರಿಕೆ ಕಳ್ಳತನ
ಸುಳ್ಳುಸಾಕ್ಷಿ ಬೈಗಳು ಹೊರಟು ಬರುತ್ತವೆ. ೨೦ ಮನುಷ್ಯನನ್ನು ಕೆಡಿಸುವಂಥವುಗಳು ಇವೇ. ಆದರೆ
ಕೈ ತೊಳಕೊಳ್ಳದೆ ಊಟಮಾಡುವದು ಮನುಷ್ಯನನ್ನು ಕೆಡಿಸುವದಿಲ್ಲ. ಅಂದನು.

## ಯೇಸು ಕಾನಾನ್ಯಳಾದ ಸ್ತ್ರೀಯ ಮಗಳನ್ನು ಸ್ವಸ್ಥಮಾಡಿದ್ದು

(ಮಾರ್ಕ ೭ . ೨೪- ೩೦ )

೨೧ ಯೇಸು ಅಲ್ಲಿಂದ ಹೊರಟು ತೂರ ಸೀದೋನ್ ಪಟ್ಟಣಗಳ ಪ್ರಾಂತಗಳಿಗೆ ಹೋದನು. ೨೨ ಆ
ಸೀಮೆಯಿಂದ ಕಾನಾನ್ಯರವಳೊಬ್ಬಳು ಹೊರಟು ಬಂದು ಸ್ವಾಮೀ ದಾವೀದನ ಕುಮಾರನೇ ನನ್ನನ್ನು
ಕರುಣಿಸು ನನ್ನ ಮಗಳಿಗೆ ದೆವ್ವದ ಕಾಟ ಬಹಳವಾಗಿದೆ ಎಂದು ಕೂಗಿಕೊಂಡಳು. ೨೩ ಆದರೆ ಆತನು
ಆಕೆಗೆ ಏನೂ ಉತ್ತರ ಕೊಡಲಿಲ್ಲ. ಆಗ ಆತನ ಶಿಷ್ಯರು ಬಂದು – ನಮ್ಮ ಹಿಂದೆ ಕೂಗಿಕೊಂಡು
ಬರುತ್ತಾಳೆ. ಆಕೆಯನ್ನು ಕಳುಹಿಸಿಬಿಡು ಎಂದು ಆತನನ್ನು ಬೇಡಿಕೊಂಡರು. ೨೪ ಅದಕ್ಕಾತನು
ತಪ್ಪಿಸಿಕೊಂಡ ಕುರಿಗಳಂತಿರುವ ಇಸ್ರಾಯೇಲ ಮನೆತನದವರ ಬಳಿಗೇ ಹೊರತು ಮತ್ತಾರ ಬಳಿಗೂ

ನಾನು ಕಳುಹಿಸಲ್ಪಟ್ಟವನಲ್ಲ ಅಂದನು. ೨೫ ಆಗ ಆಕೆ ಬಂದು ಆತನಿಗೆ ಅಡ್ಡ ಬಿದ್ದು – ಸ್ವಾಮೀ
ನನಗೆ ಅನುಗ್ರಹ ಮಾಡಬೇಕು. ಅಂದಳು. ೨೬ ಅದಕ್ಕಾತನು – ಮಕ್ಕಳು ತಿನ್ನುವ ರೊಟ್ಟಿಯನ್ನು
ತಕ್ಕೊಂಡು ನಾಯಿಮರಿಗಳಿಗೆ ಹಾಕುವದು ಸರಿಯಲ್ಲ ಎಂದು ಉತ್ತರಕೊಡಲು, ೨೭ ಆಕೆ ಸ್ವಾಮಿ ಈ
ಮಾತು ನಿಜವೇ. ನಾಯಿಮರಿಗಳಂತೂ ತಮ್ಮ ಯಜಮಾನರ ಮೇಜಿನಿಂದ ಬೀಳುವ ರೊಟ್ಟಿಯ
ತುಂಡುಗಳನ್ನು ತಿನ್ನುತ್ತಾವಲ್ಲೆ ಅಂದಳು. ೨೮ ಆಗ ಯೇಸು ಆಕೆಗೆ – ಅಮ್ಮಾ ನಿನ್ನ ನಂಬಿಕೆ ಬಹಳ
. ನಿನ್ನ ಮನಸ್ಸಿನಂತೆ ಆಗಲಿ ಎಂದು ಉತ್ತರಕೊಟ್ಟನು. ಅದೇ ಗಳಿಗೆಯಲ್ಲಿ ಆಕೆಯ ಮಗಳು
ಸ್ವಸ್ಥವಾದಳು.

ಯೇಸು ಅನೇಕರನ್ನು ಸ್ವಸ್ಥಮಾಡಿದ್ದು. ನಾಲ್ಕು ಸಾವಿರ ಜನರಿಗೆ ಊಟಮಾಡಿಸಿದ್ದು.

(ಮಾರ್ಕ ೮ . ೧- ೧೦)

೨೯ ಯೇಸು ಅಲ್ಲಿಂದ ಹೊರಟು ಗಲಿಲಾಯ ಸಮುದ್ರದ ಬಳಿಗೆ ಬಂದು ಬೆಟ್ಟವನ್ನು ಹತ್ತಿ
ಕೂತುಕೊಂಡನು. ೩೦ ಆಗ ಜನರು ಗುಂಪು ಗುಂಪಾಗಿ ಆತನ ಬಳಿಗೆ ಬಂದು ಕುಂಟರು ಕುರುಡರು
ಮೂಕರು ಕೈಕಾಲಿಲ್ಲದವರು ಈ ಮುಂತಾದ ಅನೇಕರನ್ನು ಕರತಂದು ಅವರನ್ನು ಅತನ ಪಾದಗಳ
ಬಳಿಯಲ್ಲಿ ಬಿಟ್ಟರು. ಆತನು ಅವರನ್ನು ವಾಸಿಮಾಡಿದನು. ೩೧ ಮೂಕರಾಗಿದ್ದವರು ಮಾತಾಡಿದ್ದನ್ನೂ
ಕೈಕಾಲಿಲ್ಲದವರು ಸ್ವಸ್ಥವಾದದ್ದನ್ನೂ ಕುಂಟರಿಗೆ ಕಾಲು ಬಂದದ್ದನ್ನೂ ಕುರುಡರಿಗೆ ಕಣ್ಣು ಬಂದದ್ದನ್ನೂ
ಜನರು ಕಂಡು ಆಶ್ಚರ್ಯಪಟ್ಟು ಇಸ್ರಾಯೇಲ ಜನರ ದೇವರನ್ನು ಕೊಂಡಾಡಿದರು.
೩೨ ಆಗ ಯೇಸು ತನ್ನ ಶಿಷ್ಯರನ್ನು ಹತ್ತರಕ್ಕೆ ಕರೆದು ಅವರಿಗೆ – ಈ ಜನರನ್ನು ನೋಡಿ
ಕನಿಕರಪಡುತ್ತೇನೆ. ಅವರು ನನ್ನ ಬಳಿಗೆ ಬಂದು ಈಗ ಮೂರು ದಿನವಾಯಿತು. ಅವರಿಗೆ ಊಟಕ್ಕೆ
ಏನೂ ಇಲ್ಲ. ಅವರನ್ನು ಉಪವಾಸವಾಗಿ ಕಳುಹಿಸಿಬಿಡುವದಕ್ಕೆ ನನಗೆ ಮನಸ್ಸಿಲ್ಲ. ದಾರಿಯಲ್ಲಿ
ಬಳಲಿ ಹೋದಾರು ಎಂದು ಹೇಳಿದನು. ೩೩ ಶಿಷ್ಯರು – ಇಷ್ಟು ಜನರನ್ನು ತೃಪ್ತಿಪಡಿಸಲಾಗುವಷ್ಟು
ರೊಟ್ಟಿ ಈ ಅಡವಿಯಲ್ಲಿ ನಮಗೆ ಎಲ್ಲಿಂದ ಬಂದೀತು? ಅನ್ನಲು, ೩೪ ಯೇಸು – ನಿಮ್ಮಲ್ಲಿ ಎಷ್ಟು
ರೊಟ್ಟಿಗಳಿವೆ ಎಂದು ಕೇಳಿದ್ದಕ್ಕೆ ಅವರು – ಏಳು ರೊಟ್ಟಿಗಳಿವೆ ಮತ್ತು ಕೆಲವು ಸಣ್ಣ ಮೀನುಗಳು
ಅವೆ ಅಂದರು. ೩೫ ಆಗ ಆತನು ಜನರ ಗುಂಪಿಗೆ ನೆಲದ ಮೇಲೆ ಕೂತುಕೊಳ್ಳಿರಿ ಎಂದು ಅಪ್ಪಣೆ
ಕೊಟ್ಟು, ೩೬ ಆ ಏಳು ರೊಟ್ಟಿಗಳನ್ನೂ ಆ ಮೀನುಗಳನ್ನೂ ತೆಗೆದುಕೊಂಡು ದೇವರ ಸ್ತೋತ್ರ ಮಾಡಿ
ಅವುಗಳನ್ನು ಮುರಿದು ಶಿಷ್ಯರಿಗೆ ಕೊಡಲು ಶಿಷ್ಯರು ಗುಂಪಿನವರಿಗೆ ಹಂಚಿಕೊಟ್ಟರು. ೩೭ ಎಲ್ಲರೂ
ಊಟಮಾಡಿ ತೃಪ್ತರಾದರು. ಮಿಕ್ಕ ತುಂಡುಗಳನ್ನು ಕೂಡಿಸಲಾಗಿ ಏಳು ಹೆಡಿಗೆ ತುಂಬಿದವು.
೩೮ ಊಟಮಾಡಿದವರು ಹೆಂಗಸರು ಮಕ್ಕಳು ಅಲ್ಲದೆ ಗಂಡಸರೇ ನಾಲ್ಕು ಸಾವಿರ ಮಂದಿ. ೩೯ ಬಳಿಕ
ಆತನು ಆ ಜನರ ಗುಂಪನ್ನು ಕಳುಹಿಸಿ ಬಿಟ್ಟು ದೋಣಿಯನ್ನು ಹತ್ತಿ ಮಗದಾನ ಸೀಮೆಗೆ ಬಂದನು.

ಯೇಸು ಫರಿಸಾಯರ ಮತ್ತು ಸದ್ದುಕೆಯರ ವಿಷಯವಾಗಿ ಎಚ್ಚರಿಕೆ ಕೊಟ್ಟದ್ದು.

(ಮಾರ್ಕ ೯ ೧೧ – ೨೧ )

೧೬ ೧ ತರುವಾಯ ಯೇಸು ಸದ್ದುಕಾಯರು ಬಂದು ಆತನನ್ನು ಪರೀಕ್ಷಿಸುವದಕ್ಕಾಗಿ – ನೀನು
ಆಕಾಶದಲ್ಲಿ ಒಂದು ಸೂಚಕಕಾರ್ಯವನ್ನು ತೋರಿಸಿಕೊಡಬೇಕೆಂದು ಕೇಳಿದರು.
೨ ಆತನು ಅವರಿಗೆ – ಸಂಜೆ ವೇಳೆಯಲ್ಲಿ ನೀವು – ಆಕಾಶವು ಕೆಂಪಾಗಿದೆ ನಿರ್ಮಲ ದಿವ
ಬರುವದು ಅನ್ನುತ್ತೀರಿ. ೩ ಬೆಳಿಗ್ಗೆ - ಆಕಾಶವು ಮೋಡ ಮುಚ್ಚಿಕೊಂಡು ಕೆಂಪಾಗಿದೆ ಈಹೊತ್ತು
ಹಾಳಿ ಮಳೆ ಅನ್ನುತ್ತೀರಿ. ಆಕಾಶದ ಸ್ಥಿತಿಯನ್ನು ನೋಡಿ ಇದು ಹೀಗೆ ಅದು ಹಾಗೆ ಅನ್ನುವದಕ್ಕೆ
ಬಲ್ಲಿರಿ. ಆದರೆ ಈ ಕಾಲದ ಸೂಚನೆಗಳನ್ನು ತಿಳುಕೊಳ್ಳಲಾರಿರಿ. ೪ ವ್ಯಬಿಚಾರಣಿಯಂತಿರುವ
ಈಕೆಟ್ಟ ಸಂತತಿಯು ಸೂಚಕಕಾರ್ಯವನ್ನು ನೋಡಬೇಕೆಂದು ಅಪೇಕ್ಷಿಸುತ್ತದೆ. ಆದರೆ
ಯೋನನಲ್ಲಿ ಆದ ಸೂಚಕಕಾರ್ಯವೇ ಹೊರತು ಬೇರೆ ಯಾವದೂ ಒದಕ್ಕೆ ಸಿಕ್ಕುವದಿಲ್ಲ ಎಂದು
ಉತ್ತರ ಕೊಟ್ಟನು.
೫ ಶಿಷ್ಯರು ರೊಟ್ಟಿ ಬುತ್ತಿ ಕಟ್ಟಿಕೊಳ್ಳುವದನ್ನು ಮರೆತು ಆಚೇದಡಕ್ಕೆ ಬಂದಾಗ, ೬ ಯೇಸು
ಅವರಿಗೆ ಎಚ್ಚರಿಕೆ ಫರಿಸಾಯರ ಮತ್ತು ಸದ್ದುಕಾಯರ ಹುಳಿಹಿಟ್ಟಿನ ವಿಷಯದಲ್ಲಿ
ಜಾಗರೂಕರಾಗಿರಿ ಎಂದು ಹೇಳಲು ೭ ಅವರು – ನಾವು ರೊಟ್ಟಿಬುತ್ತಿ ಕಟ್ಟಿಕೊಳ್ಳದೆ ಬಂದೆವಲ್ಲಾ
ಎಂದು ತಮ್ಮತಮ್ಮೊಳಗೆ ಮಾತಾಡಿಕೊಳ್ಳುತ್ತಿದ್ದರು. ೮ ಯೇಸು ಅದನ್ನು ತಿಳಿದು – ಅಲ್ಪ
ವಿಶ್ವಾಸಿಗಳೇ, ರೊಟ್ಟಿಯಿಲ್ಲವಲ್ಲಾ ಎಂದು ನಿಮಮ್ಮೊಳಗೆ ಮಾತಾಡಿಕೊಳ್ಳುವದೇಕೆ? ೯ ನೀವು
ಇನ್ನೂ ಗ್ರಹಿಸಲಿಲ್ಲವೋ? ನಿಮಗೆ ನೆನಪಿಲ್ಲವೋ? ಆ ಐದು ರೊಟ್ಟಿಗಳನ್ನು ಐದು ಸಾವಿರ

ಜನರಿಗೆ ಹಂಚಿದಾಗ ಎಷ್ಟು ಪುಟ್ಟಿ ದುಂಬಿಟ್ಟೀರಿ ೧೦ ಇಲ್ಲವೆ ಆ ಏಳು ರೊಟ್ಟಿಗಳನ್ನು ನಾಲ್ಕು
ಸಾವಿರ ಜನರಿಗೆ ಹಂಚಿದಾಗ ಎಷ್ಟು ಹೆಡಿಗೆ ತುಂಬಿಟ್ಟೀರಿ? ೧೧ ನಾನು ರೊಟ್ಟಿಯನ್ನು ಕುರಿತು
ಮಾತಾಡಲಿಲ್ಲವೆಂಬದು ನಿಮಗೆ ತಿಳಿಯದೆ ಇರುವದು ಹೇಗೆ? ಎಚ್ಚರಿಕೆ ಫರಿಸಾಯರ
ಮತ್ತು ಸದ್ದುಕಾಯರ ಹುಳಿಹಿಟ್ಟಿನ ವಿಷಯದಲ್ಲಿ ಜಾಗರೂಕರಾಗಿರಿ ಅಂದನು. ೧೨ ಆಗ ಅವರು
ರೊಟ್ಟಿಯ ಹುಳಿಹಿಟ್ಟನ್ನು ಕುರಿತು ಎಚ್ಚರಿಕೆಯಾಗಿರಬೇಕೆಂದು ಆತನು ತಮಗೆ ಹೇಳಲಿಲ್ಲ
ಫರಿಸಾಯರ ಮತ್ತು ಸದ್ದುಕಾಯರ ಬೋಧನೆಯನ್ನು ಕುರಿತು ಎಚ್ಚರಿಕೆಯಾಗಿರಬೇಕೆಂದು
ಹೇಳಿದನು ಎಂಬದಗಿ ತಿಳುಕೊಂಡರು.

### ಪೇತ್ರನು ಯೇಸುವನ್ನು ಕ್ರಿಸ್ತನೆಂದು ಅರಿಕೆಮಾಡಿದ್ದು.

(ಮಾರ್ಕ ೮ . ೨೭-೨೯ ; ಲೂಕ ೯ . ೧೮-೨೧ )

೧೩ ಯೇಸು ಪಲಿಪ್ಪನ ಕೈಸರೈಯ ಎಂಬ ಪಟ್ಟಣದ ಪ್ರಾಂತಕ್ಕೆ ಬಂದಾಗ ಜನರು
ಮನುಷ್ಯಕುಮಾರನೆಂಬ ನನ್ನನ್ನು ಯಾರು ಅನ್ನುತ್ತಾರೆ ಎಂದು ತನ್ನ ಶಿಷ್ಯರನ್ನು ಕೇಳಿದ್ದಕ್ಕೆ.
೧೪ ಅವರು – ನಿನ್ನನ್ನು ಕೆಲವರು ಸ್ನಾನಿಕನಾದ ಯೋಹಾನನು ಅನ್ನುತ್ತಾರೆ ಕೆಲವರು ಎಲೀಯನು
ಅನ್ನುತ್ತಾರೆ ಕೆಲವರು ಯೆರಮೀಯನು ಇಲ್ಲವೆ ಪ್ರವಾದಿಗಳಲ್ಲಿ ಒಬ್ಬನು ಅನ್ನುತ್ತಾರೆ ಎಂದು
ಹೇಳಿದರು. ೧೫ ಆತನು ಅವರನ್ನು – ಅದರೆ ನೀವು ನನ್ನನ್ನು ಯಾರನ್ನುತ್ತೀರಿ ಎಂದು ಕೇಳಲಾಗಿ
ಭೂಲೋಕದಲ್ಲಿ ನೀನು ಯಾವುದನ್ನು ಕಟ್ಟುತ್ತೀಯೋ ಅದು ಪರಲೋಕದಲ್ಲಿಯೂ ಕಟ್ಟುವದು
೧೬ ಸೀಮೋನ ಪೇತ್ರನು – ನೀನು ಬರಬೇಕೆಗಿರುವ ಕ್ರಿಸ್ತನು, ಜೀವಸ್ವರೂಪನಾದ ದೇವರ
ಕುಮಾರನು ಎಂದು ಉತ್ತರ ಕೊಟ್ಟನು. ೧೭ ಅದಕ್ಕೆ ಯೇಸು ಯೋನನ ಮಗನಾದ ಸೀಮೋನನೇ
ನೀನು ಧನ್ಯನು. ಈಗುಟ್ಟು ನಿನಗೆ ತಿಳಿಸಿದವನು ನರಮನುಷ್ಯನಲ್ಲ ಪರಲೋಕದಲ್ಲಿರುವ ನನ್ನ
ತಂದೆಯೇ ತಿಳಿಸಿದನು. ೧೮ ಮತ್ತು ನಾನು ನಿನಗೆ ಒಂದು ಮಾತನ್ನು ಹೇಳುತ್ತೇನೆ , - ನೀನೆ
ಪೇತ್ರನು ಈ ಬಂಡೆಯ ಮೇಲೆ ನನ್ನ ಸಭೆಯನ್ನು ಕಟ್ಟುವೆನು. ಪಾತಾಳಲೋಕದ ಬಲವು
ಅದನ್ನು ಸೋಲಿಸಲಾರದು. ೧೯ ಪರಲೋಕ ರಾಜ್ಯದ ಬೀಗದ ಕೈಗಳನ್ನು ನಿನಗೆ ಕೊಡುವೆನು.
ಭೂಲೋಕದಲ್ಲಿ ನೀನು ಯಾವುದನ್ನು ಕಟ್ಟುತ್ತೀಯೋ ಅದು ಪರಲೋಕದಲ್ಲಿಯೂ ಕಟ್ಟುವದು.
ಮತ್ತು ಭೂಲೋಕದಲ್ಲಿ ನೀನು ಯಾವುದನ್ನು ಬಿಚ್ಚುತ್ತೀಯೋ ಅದು ಪರಲೋಕದಲ್ಲಿಯೂ
ಬಿಚ್ಚಿರುವದು ಅಂದನು. ೨೦ ಆಗ ಆತನು – ನಾನು ಕ್ರಿಸ್ತನಾಗಿದ್ದೆನೆಂಬದನ್ನು ಯಾರಿಗೂ
ಹೇಳಬೇಡಿರಿ ಎಂದು ಶಿಷ್ಯರಿಗೆ ಖಂಡಿತವಾಗಿ ಹೇಳಿದನು.

### ಯೇಸು ತನ್ನ ಮರಣವನ್ನು ಮುಂತಿಳಿಸಿ ತನ್ನ ಶಿಷ್ಯರು ತನ್ನ ನಿಮಿತ್ತವಾಗಿ ಪ್ರಾಣಬಿಡುವದಕ್ಕೆ ಸಿದ್ಧವಾಗಿರಬೇಕೆಂದು ಭೋಧಿಸಿದ್ದು.

(ಮಾರ್ಕ ೮. ೩೨- ೯. ೧ ಲೀಕ ೯ . ೨೨, ೨೭ )

೨೧ ಅಂದಿನಿಂದ ಯೇಸು ಕ್ರಿಸ್ತನು ತಾನು ಯೆರೂಸಲೇಮಿಗೆ ಹೋಗಿ ಹಿರಿಯರಿಂದಲೂ
ಮಹಯಾಜಕರಿಂದಲೂ ಶಾಸ್ತ್ರಿಗಳಿಂದಲೂ ಬಹು ಕಷ್ಟಗಳನ್ನನುಭವಿಸಿ ಕೊಲ್ಲಲ್ಪಟ್ಟು
ಮೂರನೇಯ ದಿನದಲ್ಲಿ ಎಬ್ಬಿಸಲ್ಪಡಬೇಕೆಂದು ತನ್ನ ಶಿಷ್ಯರಿಗೆ ತಿಳಿಸುವದಕ್ಕೆ ಪ್ರಾರಂಬ
ಮಾಡಿದನು. ೨೨ ಆಗ ಪೇತ್ರನು ಆತನ ಕೈಹಿಡಿದು ಸ್ವಾಮಿ ದೇವರು ನಿನ್ನನ್ನು ಕಾಯಲಿ
ನಿನಗೆ ಹೀಗೆ ಎಂದಿಗೂ ಆಗಬಾರದು ಎಂದು ಆತನನ್ನು ಗಧರಿಸುವದಕ್ಕೆ ಪ್ರಾರಂಭಿಸನು
೨೩ ಆತನು ತಿರುಗಿಕೊಂಡು ಪೇತ್ರನಿಗೆ – ಸೈತಾನನೇ ನನ್ನ ಮುಂದೆ ನಿಲ್ಲಬೇಡ. ನನಗೆ
ನೀನು ವಿಘ್ನವಾಗಿದ್ದಿ, ನಿನ್ನ ಯೋಚನೆ ಮನುಷ್ಯರ ಯೋಚನೆಯೇ ಹೊರತು ದೇವರದಲ್ಲ
ಎಂದು ಹೇಳಿದನು. ೨೪ ಮತ್ತು ಯೇಸು ತನ್ನ ಶಿಷ್ಯರಿಗೆ ಹೇಳಿದ್ದೆನಂದರೆ ಯಾವನಿಗಾದರು
ನನ್ನ ಹಿಂದೆ ಬರುವದಕ್ಕೆ ಮನಸ್ಸಿದ್ದರೆ ಅವನು ತನ್ನನ್ನು ನಿರಾಕರಿಸಿ ತನ್ನ ಶಿಲುಬೆಯನ್ನು
ಹೊತ್ತುಕೊಂಡು ನನ್ನ ಹಿಂದೆ ಬರಲಿ. ೨೫ ತನ್ನ ಪ್ರಾಣವನ್ನು ಉಳಿಸಿಕೊಳ್ಳಬೇಕೆಂದಿರುವವನು
ಅದನ್ನು ಕಳಕೊಳ್ಳುವನು. ಆದರೆ ನನ್ನ ನಿಮಿತ್ತವಾಗಿ ತನ್ನ ಪ್ರಾಣವನ್ನು ಕಳಕೊಂಡವನು
ಅದನ್ನು ಕಂಡುಕೊಳ್ಳುವನು. ೨೬ ಒಬ್ಬ ಮನುಷ್ಯನು ಲೋಕವನ್ನೆಲ್ಲಾ ಸಂಪಾದಿಸಿಕೊಂಡರೂ
ಪ್ರಾಣನಷ್ಟಪಟ್ಟರೆ ಅವನಿಗೆ ಪ್ರಯೋಜನವೇನು? ಅಥವಾ ಒಬ್ಬನು ತನ್ನ ಪ್ರಾಣಕ್ಕೆ ಏನು ಈಡು
ಕೊಟ್ಟಾನು? ೨೭ ಮನುಷ್ಯಕುಮಾರನು ತನ್ನ ತಂದೆಯ ಪ್ರಬಾವದೊಡನೆ ತನ್ನ ದೂತರ ಸಮೇತವಾಗಿ
ಬರುವನು. ಆವಾಗ ಆತನು ಒಬ್ಬೊಬ್ಬನಿಗೆ ಅವನವನ ನಡತೆಗೆ ತಕ್ಕ ಫಲವನ್ನು ಕೊಡುವನು.

೨೮ ನಿಮಗೆ ನಿಜವಾಗಿ ಹೇಳುತ್ತೇನೆ ಇಲ್ಲಿ ನಿಂತವರೊಳಗೆ ಕೆಲವರು ಮನುಷ್ಯಕುಮಾರನು ತನ್ನ
ರಾಜ್ಯದಲ್ಲಿ ಬರುವದನ್ನು ನೋಡುವ ತನಕ ಮರಣಹೊಂದುವದಿಲ್ಲ ಅಂದನು.

## ಯೇಸು ಪ್ರಕಾಶರೂಪವನ್ನು ಧರಿಸಿದ್ದು

೧೭ ೧ ಆರು ದಿವಸಗಳಾದ ಮೇಲೆ ಯೇಸು ಪೇತ್ರನನ್ನೂ ಯಾಕೋಬನನ್ನೂ ಇವನ ತಮ್ಮನಾದ
ಯೋಹಾನನನ್ನೂ ಮಾತ್ರ ವಿಂಗಡವಾಗಿ ಕರಕೊಂಡು ಎತ್ತರವಾದ ಬೆಟ್ಟಕ್ಕೆ ಹೋದನು.
೨ ಅಲ್ಲಿ ಅವರ ಕಣ್ಣ ಮುಂದೆ ಆತನ ರೂಪ ಬೇರೆಯಾಯಿತು. ಆತನ ಮುಖವು ಸೂರ್ಯನ
ಹಾಗೆ ಪ್ರಕಾಶಿಸಿತು. ಆತನ ವಸ್ತ್ರಗಳು ಬೆಳಕಿನಂತೆ ಬೆಳ್ಳಗಾದವು. ೩ ಇದಲ್ಲದೆ ಮೋಶೆಯೂ
ಎಲೀಯನೂ ಆತನ ಸಂಗಡ ಮಾತಾಡುತ್ತಾ ಅವರಿಗೆ ಕಾಣಿಸಿಕೊಂಡನು. ೪ ಆಗ ಪೇತ್ರನು
ಯೇಸುವಿಗೆ – ಸ್ವಾಮಿ ನಾವು ಇಲ್ಲೇ ಇರುವದು ಒಳ್ಳೇದು ಅಪ್ಪಣೆಯಾದರೆ ಇಲ್ಲಿ ಮೂರು
ಪರ್ಣಶಾಲೆಗಳನ್ನು ಕಟ್ಟುವೆನು. ನಿನಗೊಂದು ಮೋಶೆಗೊಂದು ಎಲೀಯನಿಗೊಂದು ಎಂದು
ಹೇಳಿದನು. ೫ ಹೀಗೆ ಮಾತಾಡುತ್ತಿರುವಾಗಲೇ ಕಾಂತಿಯುಳ್ಳ ಮೋಡವು ಅವರ ಮೇಲೆ
ಕವಿಯಿತು. ಇದಲ್ಲದೆ ಆ ಮೋಡದೊಳಗಿಂದ ಈತನು ಪ್ರಿಯನಾಗಿರುವ ಣ್ಣ ಮಗನು ಈತನನ್ನು
ನಾನು ಮೆಚ್ಚಿದ್ದೇನೆ ಈತನ ಮಾತನ್ನು ಕೇಳಿರಿ ಎಂಬ ಆಕಾಶವಾಣಿ ಆಯಿತು. ೬ ಶಿಷ್ಯರು ಇದನ್ನು
ಕೇಳಿ ಬಹಳವಾಗಿ ಹೆದರಿ ಬೋರಲ ಬಿದ್ದರು. ೭ ಆದರೆ ಯೇಸು ಹತ್ತರಕ್ಕೆ ಬಂದು ಅವರನ್ನು
ಮುಟ್ಟಿ, ಏಳಿರಿ ಹೆದರಬೇಡಿರಿ ಅಂದನು. ೮ ಅವರು ಕಣ್ಣೆತ್ತಿ ನೋಡಿದಾಗ ಯೇಸುವನ್ನೇ
ಹೊರತು ಮತ್ತಾರನ್ನೂ ಕಾಣಲಿಲ್ಲ.
೯ ಅವರು ಆ ಬೆಟ್ಟದಿಂದ ಇಳಿದು ಬರುತ್ತಿರುವಾಗ ಯೇಸು ಅವರಿಗೆ – ನೀವು ಈಗ
ಕಂಡ ದರ್ಶನವನ್ನು ಮನುಷ್ಯಕುಮಾರನು ಸತ್ತು ಜೀವಿತನಾಗಿ ಎಬ್ಬಿಸಲ್ಪಡುವ ತನಕ ಯಾರಿಗೂ
ಹೇಳಬೇಡಿರೆಂದು ಖಂಡಿತವಾಗಿ ಹೇಳಿದನು. ೧೦ ಆಗ ಆತನ ಶಿಷ್ಯರು ಎಲೀಯನು ಮೊದಲು
ಬರುವದು ಅವಶ್ಯವೆಂಬದಾಗಿ ಶಾಸ್ತ್ರಿಗಳು ಹೇಳುತ್ತಾರಲ್ಲಾ, ಇದು ಹೇಗೆ ಎಂದು ಆತನನ್ನು
ಕೇಳಿದ್ದಕ್ಕೆ , ೧೧ ಆತನು ಎಲೀಯನು ಬರುವದು ನಿಜ. ಬಂದು ಎಲ್ಲವನ್ನು ತಿರಿಗಿ ಸರಿಮಾಡುವನು.
೧೨ ಆದರೆ ನಾನು ನಿಮಗೆ ಹೇಳುವದೇನಂದರೆ, ಎಲೀಯನು ಬಂದು ಹೋದನು ಜನರು ಅವನ
ಗುರುತು ಅರಿಯದೆ ತಮ್ಮ ಮನಸ್ಸಿಗೆ ಬಂದಂತೆ ಅವನಿಗೆ ಮಾಡಿದರು. ಅವನಿಗಾದಂತೆ
ಮನುಷ್ಯಕುಮಾರನಿಗೆ ಸಹ ಅವರ ಕಡೆಯಿಂದ ಹಿಂಸೆಯಾಗುವದು ಎಂದು ಉತ್ತರ ಕೊಟ್ಟನು.
೧೩ ಆಗ ಸ್ನಾನಿಕನಾದ ಯೋಹಾನನ ವಿಷಯವಾಗಿ ತಮಗೆ ಈ ಮಾತನ್ನು ಹೇಳಿದನೆಂದು ಶಿಷ್ಯರು
ತಿಳುಕೊಂಡರು.

## ಮೂರ್ಛಾರೋಗಿಯನ್ನು ಸ್ವಸ್ಥಮಾಡಿದ್ದು.

(ಮಾರ್ಕ ೯.೧೪-೨೯. ಲೂಕ ೯. ೩೭ -೪೨ )

೧೪ ಅವರು ಜವರ ಗುಂಪಿನ ಬಳಿಗೆ ಬಂದಾಗ ಒಬ್ಬನು ಆತನ ಹತ್ತಿರಕ್ಕೆ ಬಂದು ಆತನ
ಮುಂದೆ ಮೊಣಕಾಲೂರಿ ವಂದಿಸಿ – ೧೫ ಸ್ವಾಮೀ ನನ್ನ ಮಗನನ್ನು ಕರುಣಿಸು ಅವನು
ಮೂರ್ಛಾರೋಗದಿಂದ ಬಹಳ ಕಷ್ಟಪಡುತ್ತಿದ್ದಾನೆ. ಆಗಾಗ್ಗೆ ಬೆಂಕಿಯಲ್ಲಿಯೂ ಆಗಾಗ್ಗೆ
ನೀರಿನಲ್ಲಿಯೂ ಬೀಳುತ್ತಿರುವನು. ೧೬ ಅವನನ್ನು ನಿನ್ನ ಶಿಷ್ಯರ ಬಳಿಗೆ ಕರಕೊಂಡು ಬಂದಿದ್ದೆನು.
ಆದರೆ ಅವನಿಗೆ ವಾಸಿ ಮಾಡುವದಕ್ಕೆ ಅವರಿಂದ ಆಗದೇ ಹೋಯಿತು ಅಂದನು. ೧೭ ಅದಕ್ಕೆ
ಯೇಸು – ಎಲಾ ನಂಬಿಕೆಯಿಲ್ಲದಂಥ ಮೂರ್ಖ ಸಂತಾನವೇ ನಾನು ಇನ್ನೆಷ್ಟು ದಿನನಿಮ್ಮ ಸಂಗಡ
ಇರಲಿ? ಇನ್ನೆಷ್ಟು ದಿನ ನಿಮ್ಮನ್ನು ಸಹಿಸಿಕೊಳ್ಳಲಿ? ಅವನನ್ನು ಇಲ್ಲಿ ನನ್ನ ಬಳಿಗೆ ತಕ್ಕೊಂಡು
ಬನ್ನಿರಿ ಅಂದನು. ೧೮ ಯೇಸು ಅವನನ್ನು ಗದರಿಸಲು ದೆವ್ವ ಅವನನ್ನು ಬಿಟ್ಟುಹೋಯಿತು.
ಆಕ್ಷಣವೇ ಆ ಹುಡುಗನಿಗೆ ಸ್ವಸ್ಥವಾಯಿತು. ೧೯ ತರುವಾಯ ಶಿಷ್ಯರು ಏಕಾಂತವಾಗಿ ಯೇಸುವಿನ
ಬಳಿಗೆ ಬಂದು – ಅದನ್ನು ಬಿಡಿಸಲಿಕ್ಕೆ ನಮ್ಮಿಂದ ಯಾಕೆ ಆಗಲಿಲ್ಲವೆಂದು ಕೇಳಲು,
೨೦ಆತನು ಅವರಿಗೆ ನಿಮ್ಮ ನಂಬಿಕೆ ಕಡಿಮೆಯಾಗಿರುವದರಿಂದಲೇ ಆಗಲಿಲ್ಲ ನಿಮಗೆ
ಸತ್ಯವಾಗಿ ಹೇಳುತ್ತೇನೆ. ಸಾಸಿವೇ ಕಾಳಷ್ಟು ನಂಬಿಕೆ ನಿಮಗೆ ಇರುವದಾದರೆ, ೨೧ ನೀವು ಈ
ಬೆಟ್ಟಕ್ಕೆ – ಇಲ್ಲಿಂದ ಅಲ್ಲಿಗೆ ಹೋಗು ಎಂದು ಹೇಳಿದರೂ ಅದು ಹೋಗುವದು ಮತ್ತು ನಿಮ್ಮ
ಕೈಯಿಂದಾಗದಂಥದು ಒಂದೂ ಇರುವದಿಲ್ಲ ಅಂದನು.

### ಯೇಸು ತನ್ನ ಮರಣ ಪುನರುತ್ಥಾನಗಳನ್ನು ಎರಡನೆಯ ಸಾರಿ ಮುಂತಿಳಿಸಿದ್ದು.

(ಮಾರ್ಕ ೯. ೩೦-೩೧ ಲೂಕ ೯ . ೪೩- ೪೫ )

೨೨ ಅವರು ಗಲಿಲಾಯದಲ್ಲಿ ಗುಂಪು ಗುಂಪಾಗಿ ಕೂಡುತ್ತಿರುವಾಗ ಯೇಸು ಅವರಿಗೆ –
ಮನುಷ್ಯಕುಮಾರನು ಮನುಷ್ಯರ ಕೈಗೆ ಒಪ್ಪಿಸಲ್ಪಡುವನು. ಅವರು ಆತನನ್ನು ಕೊಲ್ಲುವರು ೨೩ ಸತ್ತು
ಮೂರನೇಯ ದಿನದಲ್ಲಿ ಆತನು ಜೀವಿತನಾಗಿ ಎಬ್ಬಿಸಲ್ಪಡುವನು ಎಂದು ಹೇಳಿದನು. ಅದನ್ನು
ಕೇಳಿ ಅವರು ಬಹಳ ದುಃಖಪಟ್ಟರು.

### ಯೇಸು ಮಂಗೇತೆರಿಗೆಯನ್ನು ಕೊಟ್ಟ ರೀತಿಯಿಂದ ತಾನು ದೇವಕುಮಾರನೆಂದು ತೋರಿಸಿದ್ದು.

೨೪ ಅವರು ಕಪೆರ್ನೌಮಿಗೆ ಬಂದಾಗ ದೇವಾಲಯಕ್ಕಾಗಿ ತೆರಿಗೆಯನ್ನು ಎತ್ತುವವರು ಪೇತ್ರನ
ಬಳಿಗೆ ಬಂದು – ನಿಮ್ಮ ಬೋಧಕನು ದೇವಾಲಯದ ತೆರಿಗೆಯನ್ನು ಸಲ್ಲಿಸುವದಿಲ್ಲವೇ
ಎಂದು ಕೇಳಲು – ಹೌದು ಸಲ್ಲಿಸುವನು ಅಂದನು. ೨೫ ಪೇತ್ರನು ಮನೆಯೊಳಕ್ಕೆ ಬಂದಾಗ
ಯೇಸು ಅವನಿಗಿಂತ ಮೊದಲೇ - ಸೀಮೋನಾ ನಿನಗೆ ಹೇಗೆ ತೋರುತ್ತದೆ? ಬೂಲೋಕದ
ಅರಸನು ಸುಂಕವನ್ನಾಗಲಿ ಮಂಡೇತೆರಿಗೆಯನ್ನಾಗಲಿ ಯಾರಿಂದ ತೆಗೆದುಕೊಳ್ಳುತ್ತಾರೆ? ತಮ್ಮ
ಮಕ್ಕಳಿಂದಲೋ? ಬೇರೆಯವರಿಂದಲೋ? ಎಂದು ಕೇಳಿದನು. ೨೬ ಅವನು – ಬೇರೆಯವರಿಂದ
ಎಂದು ಉತ್ತರ ಕೊಡಲು ಯೇಸು ಅವನಿಗೆ ಹಾಗಾದರೆ ಮಕ್ಕಳು ಅದಕ್ಕೆ ಒಳಗಾದವರಲ್ಲವಲ್ಲಾ.
೨೭ ಆದರೂ ನಮ್ಮ ವಿಷಯವಾಗಿ ಅವರು ಬೇಸರಗೊಳ್ಳಬಾರದು. ನೀನು ಸಮುದ್ರಕ್ಕೆ ಹೋಗಿ
ಗಾಳಾ ಹಾಕಿ ಮೊದಲು ಸಿಕ್ಕುವ ಮೀನನ್ನು ಎತ್ತು, ಅದರ ಬಾಯಿ ತೆರೆದು ನೋಡಿದರೆ ಅದರಲ್ಲಿ
ಒಂದು ರೂಪಾಯಿ ಸಿಕ್ಕುವದು ಅದನ್ನು ತೆಗೆದುಕೊಂಡು ನಮ್ಮಿಬ್ಬರದಂತೆ ಹೇಳಿ ಅವರಿಗೆ ಕೊಡು
ಎಂದು ಹೇಳಿದನು.

### ಯೇಸು ತನ್ನ ಶಿಷ್ಯರಿಗೆ ಶಿಶುಭಾವ ಇರಬೇಕೆಂತಲೂ ಸಹೋದಱ ಪಾಪಗಳನ್ನು ಕ್ಷಮಿಸಬೇಕಂತಲೂ ಬೋಧಿಸಿದ್ದು.

(ಮಾರ್ಕ ೯.೩೩- ೩೭ . ಲೂಕ ೯. ೪೬ -೪೮.)

೧೮ ೧ ಆ ವೇಳೆಯಲ್ಲಿ ಶಿಷ್ಯರು ಯೇಸುವಿನ ಬಳಿಗೆ ಬಂದು – ಪರಲೋಕ ರಾಜ್ಯದಲ್ಲಿ
ಯಾವನು ಹೆಚ್ಚಿನವನು ಎಂದು ಕೇಳಲು, ೨ ಆತನು ಚಿಕ್ಕ ಮಗುವನ್ನು ಹತ್ತರಕ್ಕೆ ಕರೆದು
ಅವರ ನಡುವೆ ನಿಲ್ಲಿಸಿ, ೩ ಅವರಿಗೆ ನೀವು ತಿರುಗಿಕೊಂಡು ಚಿಕ್ಕ ಮಕ್ಕಳಂತೆ ಆಗದೇ ಹೋದರೆ
ನೀವು ಪರಲೋಕ ರಾಜ್ಯದಲ್ಲಿ ಸೇರುವದೇ ಇಲ್ಲವೆಂದು ನಿಮಗೆ ಸತ್ಯವಾಗಿ ಹೇಳುತ್ತೇನೆ.
೪ ಹೀಗಿರುವದರಿಂದ ಯಾವನು ಈ ಚಿಕ್ಕ ಮಗುವಿನಂತೆ ತನ್ನನ್ನು ತಗ್ಗಿಸಿಕೊಳ್ಳುತ್ತಾನೋ ಅವನೇ
ಪರಲೋಕ ರಾಜ್ಯದಲ್ಲಿ ಹೆಚ್ಚಿನವನು. ೫ ಇದಲ್ಲದೆ ಯಾವನಾದರೂ ನನ್ನ ಹೆಸರಿನಲ್ಲಿ ಇಂಥ
ಒಂದು ಮಗುವನ್ನು ಸೇರಿಸಿಕೊಂಡರೆ ನನ್ನನ್ನು ಸೇರಿಸಿಕೊಂಡ ಹಾಗಾಯಿತು. ೬ ಆದರೆ ನನ್ನಲ್ಲಿ
ನಂಬಿಕೆಯಿಡುವ ಈ ಚಿಕ್ಕವರಲ್ಲಿ ಒಬ್ಬನಿಗೆ ಯಾವನಾದರೂ ಅಡ್ಡಿಯಾದರೆ ಅಂಥವನ ಕೊರಳಿಗೆ
ಬೀಸುವ ಕಲ್ಲು ಕಟ್ಟಿ ಅವನನ್ನು ಆಳವಾದ ಸಮುದ್ರದಲ್ಲಿ ಮುಣುಗಿಸಿಬಿಡುವದು ಅವನಿಗೆ
ಹಿತವಾಗುವದು.
೭ ತೊಡಕುಗಳು ಬರುವದರಿಂದ ಲೋಕಕ್ಕೆ ಎಷ್ಟೋ ಕೇಡು. ತೊಡಕುಗಳು ಹೇಗಾದರೂ
ಬರುವವು. ಆದಾಗ್ಯೂ ಯಾವ ಮನುಷ್ಯನಿಂದ ತೊಡಕು ಬರುತ್ತದೋ ಅವನ ಗತಿಯನ್ನು ಏನು
ಹೇಳಲಿ? ೮ ಹಾಗಾದರೆ ನಿನ್ನ ಕೈಯಾಗಲಿ ನಿನ್ನ ಕಾಲಾಗಲಿ ನಿನ್ನನ್ನು ಪಾಪದಲ್ಲಿ ಸಿಕ್ಕಿಸುವದಾದರೆ
ಅದನ್ನು ಕಡಿದು . ಬಿಸಾಟುಬಿಡು,ಎರಡು ಕೈ ಎರಡು ಕಾಲು ಉಳ್ಳವನಾಗಿದ್ದು ನಿತ್ಯವಾಗಿರುವ
ಬೆಂಕಿಯಲ್ಲಿ ಹಾಕಿಸಿಕೊಳ್ಳೂವದಕ್ಕಿಂತ ಕೈ ಕಾಲು ಕಳಕೊಂಡವನಗಿ ಜೀವದಲ್ಲಿ ಸೇರುವದು
ನಿನಗೆ ಉತ್ತಮ. ೯ ನಿನ್ನ ಕಣ್ಣು ನಿನ್ನನ್ನು ಪಾಪದಲ್ಲಿ ಸಿಕ್ಕಿಸುವದಾದರೆ ಅದನ್ನು ಕಿತ್ತು
ಬಿಸಾಟುಬಿಡು, ಎರಡು ಕಣ್ಣುಳ್ಳವನಾಗಿದ್ದು ಅಗ್ನಿನರಕದಲ್ಲಿ ಹಾಕಿಸಿಕೊಳ್ಳುವದಕ್ಕಿಂತ
ಒಂದೇ ಕಣ್ಣುಳ್ಳವನಾಗಿದ್ದು ಜೀವದಲ್ಲಿ ಸೇರುವದು ನಿನಗೆ ಉತ್ತಮ. ೧೦ ಈ ಚಿಕ್ಕವರಲ್ಲಿ
ಒಬ್ಬನನ್ನಾದರೂ ತಾತ್ಸಾರಮಾಡಬಾರದು ನೋಡಿರಿ. ಪರಲೋಕದಲ್ಲಿ ಅವರ ದೂತರು
ಪರಲೋಕದಲ್ಲಿರುವ ನನ್ನ ತಂದೆಯ ಮುಖವನ್ನು ಯಾವಾಗಲೂ ನೋಡುತ್ತಲಿದ್ದಾರೆ ಎಂದು
ನಿಮಗೆ ಹೇಳುತ್ತೇನೆ. ೧೧ ನಿಮಗೆ ಹೇಗೆ ತೋರುತ್ತದೆ. ಒಬ್ಬ ಮನುಷ್ಯನಿಗೆ ನೂರು ಕುರಿಗಳು
ಇರಲಾಗಿ ಅವುಗಳಲ್ಲಿ ಒಂದು ತಪ್ಪಿಸಿಕೊಂಡರೆ ಅವನು ತೊಂಬತ್ತೊಂಬತ್ತು ಕುರಿಗಳನ್ನು

ಬಿಟ್ಟು ಬೆಟ್ಟಕ್ಕೆ ಹೋಗಿ ತಪ್ಪಿಸಿಕೊಂಡದ್ದನ್ನು ಹುಡುಕುತ್ತಾನಲ್ಲವೇ. ಅದು ಸಿಕ್ಕಿದರೆ
ತಪ್ಪಿಸಿಕೊಳ್ಳದೆ ಇರುವ ತೊಂಬತ್ತೊಂಬತ್ತು ಕುರಿಗಳಿಗಿಂತ ಆ ಒಂದಕ್ಕೋಸ್ಕರ ಹೆಚ್ಚಾಗಿ
ಸಂತೋಷಪಡುವನೆಂದು ನಿಮಗೆ ಸತ್ಯವಾಗಿ ಹೇಳುತ್ತೇನೆ. ೧೪ ಹಾಗೆಯೇ ಈ ಚಿಕ್ಕವರಲ್ಲಿ
ಒಬ್ಬನಾದರೂ ಕೆಟ್ಟುಹೋಗುವದು ಪರಲೋಕದಲ್ಲಿರುವ ನಿಮ್ಮ ತಂದೆಯ ಚಿತ್ತವಲ್ಲ. ೧೫ ಇದಲ್ಲದೆ
ನಿನ್ನ ಸಹೋದರನು ತಪ್ಪು ಮಾಡಿದರೆ ನೀನು ಹೊಗಿ ನೀನೂ ಅವನೂ ಇಬ್ಬರೇ ಇರುವಾಗ
ಅವನ ತಪ್ಪನ್ನು ಅವನಿಗೆ ತಿಳಿಸು. ಅವನು ನಿನ್ನ ಮಾತನ್ನು ಕೇಳಿದರೆ ನಿನ್ನ ಸಹೋದರಣ್ನು
ಸಂಪೆದಿಸಿ ಕೊಂಡಿರುವೆ. ೧೬ ಅವನು ಕೇಳದೇ ಹೋದರೆ ಎರಡು ಮೂರು ಸಾಕ್ಷಿಗಳ ಬಾಯಿಂದ
ಪ್ರತಿಯೊಂದು ಮತು ಸ್ಥಾಪನೆಯಾಗುವ ಹಾಗೆ ಇನ್ನೂ ಒಬ್ಬಿಬ್ಬರನ್ನು ನಿನ್ನ ಸಂಗಡ ಕರಕೊಂಡು
ಹೋಗು. ೧೭ ಅವನು ಅವರ ಮಾತನ್ನು ಕೇಳದೆ ಹೋದರೆ ಸಭೆಗೆ ಹೇಳು. ಆದರೆ ಸಭೆಯ
ಮಾತನ್ನು ಕೇಳದೆ ಹೋದರೆ ಅವನು ನಿನಗೆ ಅಜ್ಞಾನಿಯಂತೆಯೂ ಭ್ರಷ್ಟನಂತೆಯೂ ಇರಲಿ.
೧೮ ಭೂಲೋಕದಲ್ಲಿ ನೀವು ಏನೇನು ಕಟ್ಟುತ್ತೀರೋ ಅದು ಪರಲೋಕದಲ್ಲಿಯೂ ಕಟ್ಟಿರುವದು.
ಮತ್ತು ಭೂಲೋಕದಲ್ಲಿ ಏನೆನು ಬಿಚ್ಚುತ್ತಿರೋ ಅದು ಪರಲೋಕದಲ್ಲಿಯೂ ಬಿಚ್ಚುವದು ಎಂದು
ನಿಮಗೆ ಸತ್ಯವಾಗಿ ಹೇಳುತ್ತೇನೆ. ೧೯ ಇದಲ್ಲದೆ ತಾವು ಇಬ್ಬರು ಬೇಡಿಕೊಳ್ಳತಕ್ಕ ಯಾವುದಾದರು
ಒಂದು ಕಾರ್ಯದ ವಿಷಯವಾಗಿ ಭೂಲೋಕದಲ್ಲಿ ಒಂದೇ ಮನಸ್ಸುಳ್ಳವರಾಗಿದ್ದರೆ, ಅದು
ಪರಲೋಕದಲ್ಲಿರುವ ನನ್ನ ತಂದೆಯಿಂದ ಅವರಿಗೆ ಆಗುವದೆಂದು ನಿಮಗೆ ಹೇಳುತ್ತೇನೆ.
೨೦ ಯಾಕಂದರೆ ಇಬ್ಬರು ಮೂವರು ನನ್ನ ಹೆಸರಿನಲ್ಲಿ ಎಲ್ಲಿ ಕೂಡಿ ಬಂದಿರುತ್ತಾರೋ ಅಲ್ಲಿ ಅವರ
ನಡುವೆ ನಾನು ಇದ್ದೇನೆ ಅಂದನು.
೨೧ ಆಗ ಪೇತ್ರನು ಆತನ ಬಳಿಗೆ ಬಂದು – ಸ್ವಾಮಿ ನನ್ನ ಸಹೋದರನು ನನಗೆ ತಪ್ಪು
ಮಾಡುತ್ತಾ ಬಂದರೆ ನಾನು ಎಷ್ಟು ಸಾರಿ ಅವನಿಗೆ ಕ್ಷಮಿಸಬೇಕು? ಏಳು ಸಾರಿಯೋ
ಎಂದು ಕೇಳಲು, ೨೨ ಯೇಸು ಅವನಿಗೆ ಏಳು ಸಾರಿ ಎಂದಲ್ಲ ಏಳೆಪ್ಪತ್ತು ಸಾರಿ ಎಂದು
ನಿನಗೆ ಹೇಳುತ್ತೇನೆ. ೨೩ ಆದದರಿಂದ ಪರಲೋಕ ರಾಜ್ಯವು ತನ್ನ ಸೇವಕರಿಂದ ಲೆಕ್ಕವನ್ನು
ತೆಗೆದುಕೊಳ್ಳಬೇಕೆಂದಿದ್ದ ಒಬ್ಬ ಅರಸನಿಗೆ ಹೋಲಿಕೆಯಾಗಿದೆ. ೨೪ ಅವನು ಲೆಕ್ಕಾ
ತೆಗೆದುಕೊಳ್ಳುವದಕ್ಕೆ ಪ್ರಾರಂಭಮಾಡಿದಾಗ ಕೋಟ್ಯಾಂತರ ಸಾಲಾ ಮಾಡಿದೊಬ್ಬನನ್ನು ಅವನ
ಬಳಿಗೆ ಹಿಡತಂದರು. ೨೫ ಆ ಸಾಲಾ ತೀರಿಸುವದಕ್ಕೆ ಅವನಲ್ಲಿ ಏನೂ ಇಲ್ಲದ್ದರಿಂದ ಅವನ
ಒಡೆಯನು ಅವನನ್ನೂ ಅವನ ಹೆಂಡತಿ ಮಕ್ಕಳನ್ನೂ ಅವನ ಬದುಕೆಲ್ಲವನ್ನೂ ಮಾರಿ ಅದನ್ನು
ತೀರಿಸಬೇಕೆಂದು ಅಪ್ಪಣೆ ಮಾಡಿದನು. ೨೬ ಆ ಸೇವಕನು ಅವನ ಕಾಲಿಗೆ ಬಿದ್ದು ಅವನಿಗೆ –
ಇಡೆಯನೇ, ಸ್ವಲ್ಪ ತಾಳಿಕೋ, ನಿನ್ನದೆಲ್ಲಾ ನಾನು ಕೊಟ್ಟು ತೀರಿಸುತ್ತೇನೆಂದು ನಮಸ್ಕರಿಸಲಾಗಿ,
೨೭ ಆ ಸೇವಕನ ಒಡೆಯನು ಕನಿಕರ ಪಟ್ಟು ಅವನನ್ನು ಬಿಡಿಸಿ ಆ ಸಾಲವನ್ನೆಲ್ಲಾ ಬಿಟ್ಟುಬಿಟ್ಟನು.
೨೮ ತರುವಾಯ ಆ ಸೇವಕನು ಹೊರಕ್ಕೆ ಬಂದು ತನಗೆ ನೂರು ಹಣಾ ಕೊಡಬೇಕಾದ ಒಬ್ಬ
ಜೊತೆ ಸೇವಕನನ್ನುಕಂಡು ಅವನನ್ನು ಹಿಡಿದು – ಎಲಾ ನನ್ನ ಸಾಲಾ ತೀರಿಸು ಎಂದು ಹೇಳಿ
ಕುತ್ತಿಗೆಹಿಸುಕಿದನು. ೨೯ ಆಗ ಅವನ ಜೊತೆ ಸೇವಕನು ಅವನ ಕಾಲಿಗೆ ಬಿದ್ದು – ಸ್ವಲ್ಪ ತಾಳಿಕೋ
ತೀರಿಸುತ್ತೇನೆ ಎಂದು ಬೇಡಿಕೊಂಡನು. ೩೦ ಆದರೆ ಅವನು ಒಪ್ಪದೇ ಹೋರಟುಹೋಗಿ
ಆ ಸಾಲಾ ತೀರಿಸುವ ತನಕ ಅವನನ್ನು ಸೆರೆಮನೆಯಲ್ಲಿ ಹಾಕಿಸಿದನು. ೩೧ ಅವನ ಜೊತೆ
ಸೇವಕನು ನಡೆದ ಸಂಗತಿಯನ್ನು ನೋಡಿ ಬಹಳವಾಗಿ ದುಃಖಪಟ್ಟು ಒಡೆಯನ ಬಳಿಗೆ ಬಂದು
ನಡೆದದ್ದನ್ನೆಲ್ಲಾ ತಿಳಿಸಿದನು. ೩೨ ಆಗ ಅವನ ಒಡೆಯನು ಅವನನ್ನು ಕರಸಿ –ಎಲಾ ನೀಚನೆ
ನೀನು ನನ್ನನ್ನು ಬೇಡಿಕೊಂಡದ್ದರಿಂದ ಆ ಸಾಲವನ್ನೆಲ್ಲಾ ನಾನು ಬಿಟ್ಟುಬಿಟ್ಟೇನಲ್ಲಾ ೩೩ ನಾನು
ನಿನ್ನನ್ನು ಕರುಣಿಸಿದ ಹಾಗೆನೀನು ಸಹ ನಿನ್ನ ಜೊತೆ ಸೇವಕನನ್ನುಕರುಣಿಸಬಾರದಾಗಿತ್ತೇ ಎಂದು
ಹೇಳಿ, ೩೪ ಸಿಟ್ಟು ಮಾಡಿ ತನಗೆ ಕೊಡಬೇಕಾದ ಸಾಲವನ್ನು ತೀರಿಸುವ ತನಕ ಪೀಡಿಸುವವರ
ಕೈಗೆ ಒಪ್ಪಿಸಿದನು. ೩೫ ನಿಮ್ಮಲ್ಲಿ ಪ್ರತಿಯೊಬ್ಬನು ತನ್ನ ಸಹೋದರನಿಗೆ ಮನಃಪೂರ್ವಕವಾಗಿ
ಕ್ಷಮಿಸದೇ ಹೋದರೆ ಪರಲೋಕದಲ್ಲಿರುವ ನನ್ನ ತಂದೆಯು ನಿಮಗೆ ಹಾಗೆಯೇ ಮಾಡುವನು
ಅಂದನು.

### ಯೇಸು ಯೆರೂಸಲೇಮಿಗೆ ಹೋಗಬೇಕೆಂದು ಹೊರಟಿದ್ದು , ಹೆಂಡತಿಯ ಪರಿತ್ಯಾಗದ ವಿಷಯವಾಗಿ ಉತ್ತರಕೊಟ್ಟದ್ದು.

(ಮಾರ್ಕ ೧ ೧-೧೨)

೧ ಯೇಸು ಈ ಮಾತುಗಳನ್ನು ಮುಗಿಸಿದ ಮೇಲೆ ಗಲಿಲಾಯವನ್ನು ಬಿಟ್ಟು ಯೊರ್ಧನ ಹೊಳೆಯ
ಆಚೆ ಪ್ರಯಾಣ ಮಾಡಿ ಯೂದಾಯ ಪ್ರಾಂತಕ್ಕೆ ಬಂನು. ೨ ಬಹು ಜನರು ಆತನ ಹಿಂದೆ ಗುಂಪು
ಗುಂಪಾಗಿ ಹೊದರು. ಆತನು ಅವರನ್ನು ಅಲ್ಲಿಯೇ ಸ್ವಸ್ಥಮಾಡಿದನು.

೧೯ ೩ ಆಗ ಫರಿಸಾಯರು ಆತನ ಹತ್ತಿರಕ್ಕೆ ಬಂದು ಆತನನ್ನು ಪರೀಕ್ಷಿಸಬೇಕೆಂಬ
ಯೋಚನೆಯಿಂದ – ಒಬ್ಬನು ಯಾವದಾದರೂ ಒಂದು ಕಾರಣದಿಂದ ತನ್ನ ಹೆಂಡತಿಯನ್ನು
ಬಿಟ್ಟುಬಿಡುವದು ಧರ್ಮವೋ ಹೇಗೆ ಎಂದು ಕೇಳಿದ್ದಕ್ಕೆ, ೪ ಆತನು – ಮನುಷ್ಯರನ್ನು
ನಿರ್ಮಾಣಮಾಡಿದವನು ಆದಿಯಿಂದಲೇ ಅವರನ್ನು ಗಂಡುಹೆಣ್ಣಾಗಿ ನಿರ್ಮಿಸಿ, ೫ ಅವರ
ವಿಷಯದಲ್ಲಿ – ಈ ಕಾರಣದಿಂದ ಪುರುಷನು ತಂದೆತಾಯಿಗಳನ್ನು ಬಿಟ್ಟು ತನ್ನ ಹೆಂಡತಿಯನ್ನು
ಸೇರಿಕೊಳ್ಳುವನು. ಅವರಿಬ್ಬರು ಒಂದೇ ಶರೀರವಾಗಿರುವರು ಎಂದು ಹೇಳಿದನೆಂಬದಾಗಿ
ನೀವು ಓದಲಿಲ್ಲವೋ? ೬ ಹೀಗಿರುವಲ್ಲಿ ಅವರು ಇನ್ನು ಇಬ್ಬರಲ್ಲ ಒಂದೇ ಶರೀರವಾಗಿದ್ದಾರೆ.
ಆದದರಿಂದ ದೇವರು ಕೂಡಿಸಿದ್ದನ್ನು ಮನುಷ್ಯನು ಅಗಲಿಸಬಾರದು ಅಂದನು.
೭ ಅವರು ಆತನನ್ನು ಹೆಗೆದರೆ ತ್ಯಾಗಪತ್ರವನ್ನು ಕೊಟ್ಟು ಆಕೆಯನ್ನು ಬಿಟ್ಟುಬಡಬಹುದೆಂದು
ಮೋಶೆಯು ಯಾಕೆ ಆಜ್ಞೆ ಕೊಟ್ಟನು ಎಂದು ಕೇಳಲು, ೮ ಆತನು – ಮೋಶೆಯು ನಿಮ್ಮ
ಮೊಂಡುತನವನ್ನು ನೋಡಿ ನಿಮ್ಮ ಹೆಂಡರನ್ನು ಬಿಟ್ಟುಬಿಡುವದಕ್ಕೆ ಅಪ್ಪಣೆ ಕೊಟ್ಟನು. ಆದರೆ
ಆದಿಯಿಂಲೆ ಹೆಗೆ ಇರಲಿಲ್ಲ. ೯ ಮತ್ತು ಹಾದರದ ಕಾರಣದಿಂದಲ್ಲದೆ ತನ್ನ ಹೆಂಡತಿಯನ್ನು ಬಿಟ್ಟು
ಮತ್ತೊಬ್ಬಳನ್ನು ಮದುವೆ ಮಾಡಿಕೊಳ್ಳುವವನು ವ್ಯಬಿಚಾರ ಮಾಡುವವನಾಗುತ್ತಾನೆಂದು ನಿಮಗೆ
ಹೇಳುತ್ತೇನೆ ಅಂದನು. ೧೦ ಅದಕ್ಕೆ ಶಿಷ್ಯರು – ಹೆಂಡತಿಯ ವಿಷಯವಾಗಿ ಗಂಡನ ಧರ್ಮ
ಹೀಗಿದ್ದರೆ ಮದುವೆಯಾಗುವದು ಒಳ್ಳೆದಲ್ಲ ಅಂದಾಗ ೧೧ ಆತನು ಅವರಿಗೆ – ಈ ಮಾತನ್ನು
ಅಂಗೀಕರಿಸುವ ವರವನ್ನು ಹೊಂದಿದವರೇ ಹೊರತು ಮತ್ತಾರೂ ಅದನ್ನು ಅಂಗೀಕರಿಸುವದಿಲ್ಲ.
೧೨ ತಾಯಿಯ ಗರ್ಭದಿಂದ ನಂಪುಂಸಕರಾಗಿ ಹುಟ್ಟಿದವರು ಕೆಲವರು ಇದ್ದಾರೆ ಮತ್ತು ಪರಲೋಕ
ರಾಜ್ಯದ ನಿಮಿತ್ತವಾಗಿ ತಮ್ಮನ್ನು ತಾವೇ ನಪುಂಸಕರಾಗಿ ಮಾಡಿಕೊಂಡವರು ಕೆಲವರು ಇದ್ದಾರೆ
ಅಂಗೀಕರಿಸಬಲ್ಲವರು ಅಂಗೀಕರಿಸಲಿ ಎಂದು ಹ್ಯಳಿದನು.

### ಯೇಸು ಚಿಕ್ಕ ಮಕ್ಕಳನ್ನು ಆಶೀರ್ವದಿಸಿದ್ದು.

(ಮಾರ್ಕ ೧ ೧೩-೧೬, ಲೂಕ ೧೩. ೧೫-೧೭)

೧೩ ಆಗ ಕೆಲವರು ತಮ್ಮ ಚಿಕ್ಕ ಮಕ್ಕಳನ್ನು ಯೇಸುವಿನ ಬಳಿಗೆ ತಂದು ಆತನು ಅವಯಗಳ
ಮ�ಲೆ ಕೈಯಿಟ್ಟು ಪ್ರಾರ್ಥನೆ ಮಾಡಬೇಕೆಂದು ಕೇಳನು, ಶಿಷ್ಯರು ಅವರನ್ನು ಗದರಿಸಿದರು.
೧೪ ಆದರೆ ಯೇಸು ಮಕ್ಕಳನ್ನು ಬಿಡಿರಿ. ನನ್ನ ಹತ್ತರ ಬರುವದಕ್ಕೆ ಅವುಗಳಿಗೆ ಅಡ್ಡಿಮಾಡಬೇಡಿರಿ
ಪರಲೋಕರಾಜ್ಯವು ಇಂಥವರದೇ ಎಂದು ಹೇಳಿ ಅವುಗಳ ಮೇಲೆ ಕೈಯಿಟ್ಟು ಅಲ್ಲಿಂದ ಹೊರಟು
ಹೋದನು.

### ನಿತ್ಯಜೀವವನ್ನು ಹೇಗೆ ಪಡೆಯಬೇಕೆಂದು ಒಬ್ಬ ಐಶ್ವರ್ಯವಂತನು ವಿಚಾರಿಸಿದ್ದಕ್ಕೆ ಯೇಸು ಹಣದ ಭ್ರಾಂತಿಯಿಂದಾಗುವ ಕೇಡನ್ನು ತೋರಿಸಿದ್ದು.

(ಮಾರ್ಕ ೧ ೧೭- ೨೭ ಲೂಕ ೧೮. ೧೮- ೨೭ )

೧೬ ಆಗ ಒಬ್ಬನು ಬಂದು ಆತನನ್ನು – ಬೋಧಕನೇ ನಾನು ನಿತ್ಯಜೀವವನ್ನು ಪಡೆಯಬೇಕೆದರೆ
ಏನು ಒಳ್ಳೆ ಕಾರ್ಯವನ್ನು ಮಾಡಬೇಕು ಎಂದು ಕೇಳಲಾಗಿ ೧೭ ಆತನು ಅವನಿಗೆ -
ಒಳ್ಳೇದನ್ನು ಕುರಿತು ನನ್ನನ್ನು ಯಾಕೆ ಕೇಳುತ್ತೀ ಒಳ್ಳೆಯವನು ಒಬ್ಬನೇ. ಆದರೆ ಆ
ಜೀವವನ್ನು ಸೇರಬೇಕೆಂದಿದ್ದರೆ ದೇವರಾಜ್ಞೆಗಳಿಗೆ ಸರಿಯಾಗಿ ನಡೆದುಕೊ ಎಂದು
ಹೇಳಿದ್ದಕ್ಕೆ, ೧೮ ಅವನು – ಅವು ಯಾವವು ಎಂದು ಕೇಳಲು, ಯೇಸು ನರಹತ್ಯ ಮಾಡಬಾರದು,
ವ್ಯಬಿಚಾರ ಮಾಡಬಾರದು, ಕದಿಯಬಾರದು, ಸುಳ್ಳು ಸಾಕ್ಷಿ ಹೇಳಬಾರದು. ೧೯ ನಿನ್ನ
ತಂದೆತಾಯಿಗಳನ್ನು ಸನ್ಮಾನಿಸಬೇಕು. ಮತ್ತು ನಿನ್ನ ಹಾಗೆಯೆ ನಿನ್ನ ನೆರೆಯವನನ್ನು ಪ್ರೀತಿ

ಮಾಡಬೇಕು.ಎಂಬೀವುಗಳೇ ಅಂದನು. ೨೦ ಆ ಯೌವನಸ್ಥನು ಆತನನ್ನು – ಇವೆಲ್ಲಕ್ಕೂ ಸರಿಯಾಗಿ
ನಡಕೊಂಡಿದ್ದೇನೆ ಇನ್ನೇನು ಕಡಿಮೆಯಾಗಿರಬಹುದೆಂದು ಕೇಳಲು, ೨೧ ಯೇಸು ಅವನಿಗೆ –
ನೀನು ಸಂಪೂರ್ಣನಾಗಬೇಕೆಂದಿದ್ದರೆ ಹೋಗಿ ನಿನ್ನ ಆಸ್ತಿಯನ್ನು ಮಾರಿ ಬಡವರಿಗೆ ಕೊಡು
ಪರಲೋಕದಲ್ಲಿ ನಿನಗೆ ಸಂಪತ್ತಿರುವದು ನೀನು ಬಂದು ನನ್ನನ್ನು ಹಿಂಬಾಲಿಸು ಎಂದು ಹೇಳಿದನು.
೨೨ ಆ ಯೌವನಸ್ಥನು ಬಹಳ ಆಸ್ತಿಯುಳ್ಳವನಾಗಿದ್ದದರಿಂದ ಈ ಮಾತನ್ನು ಕೇಳಿ ದುಃಖದಿಂದ
ಹೊರಟುಹೋದನು.
ಆಗಯೇಸು ತನ್ನ ಶಿಷ್ಯರನ್ನು ನೋಡಿ – ನಿಮಗೆ ಸತ್ಯವಾಗಿ ಹೇಳುತ್ತೇನೆ ಐಶ್ವರ್ಯವಂತನು
ಪರಲೋಕರಾಜ್ಯದಲ್ಲಿ ಸೇರುವದು ಕಷ್ಟ. ೨೪ ಐಶ್ವರ್ಯವಂತನು ದೇವರ ರಾಜ್ಯದಲ್ಲಿ ಸೇರುವದಕ್ಕಿಂತ
ಒಂಟೆಯ ಸೂಜಿಯ ಕಣ್ಣಿನಲ್ಲಿ ನುಗ್ಗುವದು ಸುಲಭ ಎಂದು ನಿಮಗೆ ತಿರುಗಿ ಹೇಳುತ್ತೇನೆ
ಅಂದನು. ೨೫ ಶಿಷ್ಯರು ಇದನ್ನು ಕೇಳಿ ಅತ್ಯಾಶ್ಚರ್ಯಪಟ್ಟು - ಹೀಗಿದ್ದರೆ ಯಾರಿಗೆ ರಕ್ಷಣೆಯಾದೀತು
ಎಂದು ಕೇಳಲು, ೨೬ ಯೇಸು ಅವರನ್ನು ದೃಷ್ಟಿಸಿ ನೋಡಿ ಇದು ಮನುಷ್ಯರಿಗೆ ಅಸಾಧ್ಯ. ಆದರೆ
ದೇವರಿಗೆ ಎಲ್ಲವು ಸಾಧ್ಯವೇ ಅಂದನು.

## ಯೇಸುವಿಗೋಸ್ಕರ ಎಲ್ಲವನ್ನು ಬಿಟ್ಟವರಿಗೂ ಪ್ರತಿಫಲವು ದೇವರ ಕೃಪೆಯಿಂದಲೇ ಸಿಕ್ಕುವದು.

(ಮಾರ್ಕ ೧ ೨೮-೩೧; ಲೂಕ ೧೮,೨೮-೩೦ )

೨೭ ಆಗ ಪೇತ್ರನು ಆತನನ್ನು – ಇಗೋ ವಾವು ಎಲ್ಲಾ ಬಿಟ್ಟು ಬಿಟ್ಟು ನಿನ್ನನ್ನು ಹಿಂಬಾಲಿಸಿದೆವು
ನಮಗೆ ಏನು ದೊರಕುವದು ಎಂದು ಕೇಳಲು, ೨೮ ಯೇಸು ಅವರಿಗೆ ನಿಮಗೆ ಸತ್ಯವಾಗಿ
ಹೃಳುತ್ತೆನೆ, ಹೊಸ ಸೃಷ್ಟಿಯಲ್ಲಿ ಮನುಷ್ಯಕುಮಾರನು ತನ್ನ ಮಹಿಮೆಯ ಸಿಂಹಾಸನದ ಮೇಲೆ
ಕೂತುಕೊಳ್ಳುವಾಗ ನನ್ನನ್ನು ಹಿಂಬಾಲಿಸಿರುವ ನೀವು ಸಹ ಹನ್ನೆರಡು ಸಿಂಹಾಸನಗಳ ಮೇಲೆ
ಕೂತುಕೊಂಡು ಇಸ್ರಾಯೇಲಿನ ಹನ್ನೆರಡು ಕುಲಗಳಿಗೆ ನ್ಯಾಯತೀರಿಸುವಿರಿ. ೨೯ ಮತ್ತು
ನನ್ನ ಹೆಸರಿನ ನಿಮಿತ್ತ ಮನೆಗಳನ್ನಾಗಲಿ ಅಣ್ಣತಮ್ಮಂದಿರನ್ನಾಗಲಿ, ಅಕ್ಕತಂಗಿಯರನ್ನಾಗಲಿ
ತಂದೆಯನ್ನಾಗಲಿ, ತಾಯಿಯನ್ನಾಗಲಿ ಮಕ್ಕಳನಶನಾಗಲಿ ಭೂಮಿಯನ್ನಾಗಲಿ
ಬಿಟ್ಟುಬಿಟ್ಟಿರುವವರೆಲ್ಲರಿಗೆ ಅನೇಕ ಪಾಲು ಹೆಚ್ಚಾಗಿ ಸಿಕ್ಕುವದು. ಮತ್ತು ಅವರು ನಿತ್ಯಜೀವಕ್ಕೆ
ಬಾಧ್ಯರಾಗುವರು. ೩೦ ಆದರೆ ಬಹು ಮಂದಿ ಮೊಲಿನವರು ಕಡೆಯವರಾಗುವರು. ಕಡೆಯವರು
ಮೊದಲಿನವರಾಗುವರು.

೨೦ ೧ ಅದು ಹೇಗಂದರೆ – ಪರಲೋಕರಾಜ್ಯವು ಒಬ್ಬ ಮನೆಯ ಯಜಮಾನನಿಗೆ
ಹೋಲಿಕೆಯಾಗಿದೆ. ಅವನು ತನ್ನ ದ್ರಾಕ್ಷೇತೋಟಕ್ಕೆ ಕೂಲೀ ಆಳುಗಳನ್ನು
ಕರೆಯುವದಕ್ಕೆ ಬೆಳಿಗ್ಗೆ ಹೊರಟನು. ೨ ಆಳಿಗೆ ದಿನಕ್ಕೆ ಒಂದು ಪಾವಲಿಯಂತೆ ಕೂಲಿ ಹೊತ್ತು
ಮಾಡಿ ಅವರನ್ನು ದ್ರಾಕ್ಷೇತೋಟಕ್ಕೆ ಕಳುಹಿಸಿದನು. ೩ ತರುವಾಯ ಹೆಚ್ಚುಕಡಿಮೆ ಒಂಬತ್ತು
ಗಂಟೆಗೆ ಹೋಗಿ ಪೇಟೆಯಲ್ಲಿ ಸುಮ್ಮನೇ ನಿಂತಿದ್ದ ಇನ್ನು ಕೆಲವರನ್ನು ಕಂಡು , ೪ ನೀವು ಸಹ ನನ್ನ
ದ್ರಾಕ್ಷೇತೋಟಕ್ಕೆ ಹೋಗಿರಿ ನಿಮಗೆ ಸರಿಯಾದ ಕೂಲಿಯನ್ನು ಕೊಡುತ್ತೇನೆ ಅನ್ನಲು ಅವರು
ತೋಟಕ್ಕೆ ಹೋದರು. ೫ ಅವನು ತಿರುಗಿ ಹೆಚ್ಚುಕಡಿಮೆ ಹನ್ನೆರಡು ಗಂಟೆಗೆ ಮತ್ತು ಮೂರು
ಗಂಟೆಗೆ ಅದೇ ಪ್ರಕಾರ ಮಾಡಿದನು. ೬ ತಿರುಗಿ ಹೆಚ್ಚುಕಡಿಮೆ ಸಾಯಂಕಾಲ ಐದು ಗಂಟೆಗೆ
ಹೋಗಿ ಬೇರೆ ಕೆಲವರು ನಿಂತಿರುವದನ್ನು ಕಂಡು ಅವರನ್ನು ದಿನವೆನ್ನಾ ಇಲ್ಲಿ ಯಾಕೆ ಸುಮ್ಮನೆ
ನಿಂತಿದ್ದಿರಿ ಎಂದು ಕೇಳಲು. ೭ ಅವರು ಯಾರೂ ನಮ್ಮನ್ನು ಕೂಲಿಗೆ ಕರೆಯಲಿಲ್ಲ ಅಂದಾಗ ಅವನು
ನೀವು ಸಹ ನನ್ನ ದ್ರಾಕ್ಷೇತೋಟಕ್ಕೆ ಹೋಗಿರಿ ಅಂದನು. ೮ ಸಂಜೇ ಹೊತ್ತಿಗೆ ದ್ರಾಕ್ಷೇತೋಟದ
ಯಜಮಾನನು ತನ್ನ ಪಾರುಪತ್ಯಗಾರನಿಗೆ – ಆಆಳುಗಳನ್ನು ಕರೆದು ಕಡೆಗೆ ಬಂದವರನ್ನು
ಮೊದಲು ಮಾಡಿಕೊಂಡು, ಮೊದಲು ಬಂದವರ ತನಕ ಅವರಿಗೆ ಕೂಲಿ ಕೊಡು ಎಂದು
ಹೇಳಿದನು. ೯ ಆಗ ಸಾಯಂಕಾಲ ಐದು ಗಂಟೆಗೆ ಬಂದವರಿಗೆ ಒಂದೊಂದು ಪಾವಲಿ ಸಿಕ್ಕಿತು.
೧೦ ತರುವಾಯ ಮೊದಲಿನವರು ಬಂದು ತಮಗೆ, ಹೆಚ್ಚು ದೊರೆಯುವದೆಂದು ನೆನಸಿದರು.
ಆದರೆ ಇವರಿಗೆ ಸಹ ಒಂದೊಂದು ಪಾವಲಿಯೇ ಸಿಕ್ಕಿತು. ೧೧ ಅದನ್ನು ತೆಗೆದುಕೊಂಡು
ಮನೆಯ ಯಜಮಾನನ ಮೇಲೆ ಗುಣಗುಟ್ಟಿ – ೧೨ ಕಡೆಗೆ ಬಂದ ಇವರು ಒಂದು ತಾಸು ಹೊತ್ತು
ಮಾತ್ರ ಕೆಲಸ ಮಾಡಿದ್ದಾರೆ. ನಾವು ದಿನವೆಲ್ಲಾ ಬಿಸಲಿನಲ್ಲಿ ಕೆಲಸ ಮಾಡಿ ಕಷ್ಟಪಟ್ಟಿದ್ದೇವೆ.
ಇವರನ್ನು ನಮಗೆ ಸಮ ಮಾಡಿದ್ದಿಯೆ ಅಂದರು. ೧೩ ಅದಕ್ಕೆ ಅವನು ಅವರಲ್ಲಿ ಒಬ್ಬನಿಗೆ – ಏನಪ್ಪಾ
ನಾನು ನಿನಗೆ ಅನ್ಯಾಯ ಮಾಡಲಿಲ್ಲ. ನೀನು ನನ್ನ ಸಂಗಡ ಒಂದು ಪಾವಲಿಗೆ ಒಡಂಬಟ್ಟಿಯಲ್ಲಾ
೧೪ ನಿನ್ನ ಕೂಲಿ ತಕ್ಕೊಂಡು ಹೋಗು ನಿನಗೆ ಕೊಟ್ಟಂತೆ ಕಡೆಗೆ ಬಂದ ಇವನಿಗೂ ಕೊಡುವದಕ್ಕೆ

ನನಗೆ ಮನಸ್ಸುಂಟು. ೧೫ ನನ್ನ ಬದುಕನ್ನು ನಾನು ಬೇಕೆದ ಹಾಗೆ ಮಾಡಬಹುದಲ್ಲವೋ? ನಾನು
ಒಳ್ಳೆಯವನಾಗಿರುವದು ನಿನ್ನ ಕಣ್ಣನ್ನು ಒತ್ತುತ್ತದೋ ಎಂದು ಹೇಳಿದನು. ೧೬ ಈ ಪ್ರಕಾರ
ಕಡೆಯವರು ಮೊದಲಿನವರಾಗುವರು ಮೊಲಿನವರು ಕಡೆಯವರಾಗುವರು. ಎಂದು ಹೇಳಿದನು.

### ಯೇಸು ತನ್ನ ಕಷ್ಟ ಮರಣ ಪುನರುತ್ಥಾನಗಳನ್ನು ಮೂರನೇಯ ಸಾರಿ ಮುಂತಿಳಿಸಿದ್ದು.

(ಮಾರ್ಕ ೧೦. ೩೨ – ೩೪ ಲೂಕ ೧೮. ೩೧ -೩೫)

೧೭ ಯೇಸು ಯೆರೂಸಲೇಮಿಗೆ ಹೋಗುತ್ತಿರುವಾಗ ಹನ್ನೆರಡು ಮಂದಿ ಶಿಷ್ಯರನ್ನು ಒತ್ತಟ್ಟಿಗೆ
ಕರೆದುಕೊಂಡು ದಾರಿಯಲ್ಲಿ ಅವರಿಗೆ – ೧೮ ನೋಡಿರಿ ನಾವು ಯೆರೂಸಲೇಮಿಗೆ ಹೋಗುತ್ತಾ
ಇದ್ದೇವೆ ಮತ್ತು ಮನುಷ್ಯಕುಮಾರನನ್ನು ಮಹಾಯಾಜಕರ ಮತ್ತು ಶಾಸ್ತ್ರಿಗಳ ಕೈಗೆ ಹಿಡುಕೊಡುವರು
೧೯ ಅವರು ಅವನಿಗೆ ಮರಣದಂಡನೆಯನ್ನು ವಿಧಿಸಿ ಅವನನ್ನು ಅಪಹಾಸ್ಯ ಮಾಡುವದಕ್ಕೂ
ಕೊರಡೆಗಳಿಂದ ಹೊಡೆಯುವದಕ್ಕೂ ಶಿಲುಬೆಗೆ ಹಾಕುವದಕ್ಕೂ ಅನ್ಯರ ಕೈಗೆ ಒಪ್ಪಿಸುವರು ಅವನು
ಸತ್ತು ಮೂರನೇಯ ದಿನದಲ್ಲಿ ಜೀವಿತನಾಗಿ ಎಬ್ಬಿಸಲ್ಪಡುವನು ಎಂದು ಹೇಳಿದನು.

### ಇಬ್ಬರು ಶಿಷ್ಯರು ತಮಗೆ ಹೆಚ್ಚಿನ ಪದವಿಯನ್ನು ಕೊಡಬೇಕೆಂದು ಬೇಡಿಕೊಳ್ಳಲು ಯೇಸು ದೀನತೆಯನ್ನು ಕುರಿತು ಬೋಧಿಸಿದ್ದು

(ಮಾರ್ಕ ೧೦ ೩೫- ೪೫)

೨೦ ಆಗ ಜೆಬೆದಾಯನ ಮಕ್ಕಳ ತಾಯಿ ಆತನಿಂದ ಏನೋ ಒಂದು ಬೇಡಿಕೊಳ್ಳಬೇಕೆಂದು
ತನ್ನ ಮಕ್ಕಳನ್ನು ಕರಕೊಂಡು ಬಂದು ಆತನಿಗೆ ಅಡ್ಡಬಿದ್ದಳು. ೨೧ ಆತನು ಆಕೆಯನ್ನು – ನಿನಗೇನು
ಬೇಕಮ್ಮಾ ಎಂದು ಕೇಳಲು ಆಕೆ – ನಿನ್ನ ರಾಜ್ಯದಲ್ಲಿ ನನ್ನ ಈ ಇಬ್ಬರು ಮಕ್ಕಳಲ್ಲಿ ಒಬ್ಬನು
ನಿನ್ನ ಬಲಗಡೆಯಲ್ಲೂ ಮತ್ತೊಬ್ಬನು ಎಡಗಡೆಯಲ್ಲೂ ಕೂತುಕೊಳ್ಳುವದಕ್ಕೆ ಅಪ್ಪಣೆಯಾಗಬೇಕು
ಎಂದಳು. ೨೨ ಅದಕ್ಕೆ ಯೇಸು ನೀವು ಬೇಡಿಕೊಂಡದ್ದು ಏನೆಂದು ನಿಮಗೆ ತಿಳಿಯದು. ನಾನು
ಕುಡಿಯಬೇಕಾಗಿರುವ ಪಾತ್ರೆಯಲ್ಲಿ ನೀವು ಕುಡಿಯುವದು ನಿಮ್ಮಿಂದಾದೀತೇ ಎಂದು ಕೇಳಲು,
ಅವರು ಆಗುವದು ಅಂದರು. ೨೩ ಆಗ ಆತನು ಅವರಿಗೆ ನನ್ನ ಪಾತ್ರೆಯಲ್ಲಿ ನೀವು ಕುಡಿಯುವಿರಿ
ಸರಿ. ಆದರೆ ನನ್ನ ಎಡಬಲಗಡೆಗಳಲ್ಲಿ ಕೂತುಕೊಳ್ಳುವಂತೆ ಅನುಗ್ರಹ ಮಾಡುವದು ನನ್ನದಲ್ಲ. ನನ್ನ
ತಂದೆಯಿಂದ ಅದು ಯಾರಿಗೆಂದು ಸಿದ್ದಪಡಿಸಿದೆಯೋ ಅವರಗೇ ಸಿಕ್ಕುವದು.
೨೪ ಉಳಿದ ಹತ್ತು ಮಂದಿ ಶಿಷ್ಯರು ಇದನ್ನು ಕೇಳಿ ಆ ಇಬ್ಬರು ಅಣ್ಣತಮ್ಮಂದಿರ ಮೇಲೆ
ಸಿಟ್ಟುಗೊಂಡರು ೨೫ ಆದರೆ ಯೇಸು ಅವರನ್ನು ಹತ್ತಿರಕ್ಕೆ ಕರೆದು ಅವರಿಗೆ ಜನಗಳನ್ನಾಳುವವರು
ಅವರ ಮೇಲೆ ಅಹಂಕಾರದಿಂದ ದೊರೆತನ ಮಾಡುತ್ತಾರೆ ಮತ್ತು ದೊಡ್ಡವರು ಬಲಾತ್ಕಾರದಿಂದ
ಅಧಿಕಾರನಡೆಸುತ್ತಾರೆ ಎಂದು ನೀವು ಬಲ್ಲಿರಷ್ಟೆ. ೨೬ ನಿಮ್ಮಲ್ಲಿ ಹಾಗಿರಬಾರದು. ಆದರೆ
ನಿಮ್ಮಲ್ಲಿ ದೊಡ್ಡವನಾಗಿರಬೇಕೆಂದಿರುವವನು ನಿಮ್ಮ ಸೇವಕನಾಗಿರಬೇಕು. ೨೭ ನಿಮ್ಮಲ್ಲಿ
ಮೊದಲನೆಯವನಾಗಬೇಕೆಂದಿರುವವನು ನಿಮ್ಮ ಆಳಾಗಿರಬೇಕು. ೨೮ ಹಾಗೆಯೇ
ಮನುಷ್ಯಕುಮಾರನು ಸೇವೆಮಾಡಿಸಿಕೊಳ್ಳುವದಕ್ಕೆ ಬರಲಿಲ್ಲ ಸೇವೆ ಮಾಡುವದಕ್ಕೂ
ಅನೇಕರನ್ನು ಬಿಡಿಸಿಕೊಳ್ಳುವದಕ್ಕಾಗಿ ತನ್ನ ಪ್ರಾಣವನ್ನು ಈಡು ಕೊಡುವದಕ್ಕೂ ಬಂದನು ಎಂದು
ಹೇಳಿದನು.

### ಯೇಸು ಇಬ್ಬರು ಕುರುಡರಿಗೆ ದೃಷ್ಟಿ ಕೊಟ್ಟದ್ದು.

(ಮಾರ್ಕ ೧೦ . ೪೬- ೫೨ . ಲೂಕ ೧೮ , ೩೫-೪೩)

೨೯ . ಅವರು ಯೆರಿಕೋವಿನಿಂದ ಹೊರಟುಹೋಗುತ್ತಿರುವಾಗ ಜನರ ದೊಡ್ಡ ಗುಂಪು ಆತನ
ಹಿಂದೆ ಹೋಯಿತು. ೩೦ ಆಗ ದಾರಿಯ ಮಗ್ಗುಲ್ಲಿ ಕೂತಿದ್ದ ಇಬ್ಬರು ಕುರುಡರು ಯೇಸು ಈ
ಮಾರ್ಗವಾಗಿ ಹೋಗುತ್ತಿದ್ದಾನೆಂದು ಕೇಳಿ – ಸ್ವಾಮೀ ದಾವೀದನ ಕುಮಾರನೇ ನಮ್ಮನ್ನು ಕರುಣಿಸು
ಎಂದು ಕೂಗುಕೊಂಡರು. ೩೨ ಆಗ ಯೇಸು ನಿಂತು ಅವರನ್ನು ಕರೆದು, ನಾನು ನಿಮಗೆ ಏನು
ಮಾಡಬೇಕೆಂದು ಕೋರುತ್ತೀರಿ ಎಂದು ಕೇಳಲು ೩೩ ಅವರು – ನಮ್ಮ ಕಣ್ಣುಗಳು ತೆರೆಯಲ್ಪಡಬೇಕು
ಸ್ವಾಮಿ ಅಂದರು. ೩೪ ಆಗ ಯೇಸು ಕನಿಕರಪಟ್ಟು ಅವರ ಕಣ್ಣುಗಳನ್ನು ಮುಟ್ಟಿದನು. ಕೂಡಲೇ
ಅವರಿಗೆ ಕಣ್ಣು ಬಂದವು. ಅವರು ಆತನ ಹಿಂದೆ ಹೋದರು.

## ಯೇಸು ಅರಸನಂತೆ ಯೆರೂಸಲೇಮಿನಲ್ಲಿ ಪ್ರವೇಶಿಸಿದ್ದು.

(ಮಾರ್ಕ ೧೧ . ೧-೧೧ ; ಲೂಕ ೧೦. ೨೯-೪೦ ; ಯೋಹಾ. ೧೨. ೧೨-೧೯ )

೨೧ ೧ ಅವನು ಯೆರೂಸಲೇಮಿಗೆ ಸಮೀಪಿಸಿ ಎಣ್ಣೆಯ ಮರಗಳ ಗುಡ್ಡದ ಬಳಿಯಲ್ಲಿರುವ
ಬೇತ್ಪಗೆಗೆ ಬಂದಾಗ, ೨ ಯೇಸು ಇಬ್ಬರು ಶಿಷ್ಯರನ್ನು ಕರೆದು ನಿಮ್ಮೆದುರಿಗಿರುವ ಹಳ್ಳಿಗೆ
ಹೋಗಿರಿ. ಹೋದಕೂಡಲೆ ಅಲ್ಲಿ ಕಟ್ಟಿರುವ ಕತ್ತೆಯನ್ನೂ ಅದರ ಕೂಡ ಇರುವ ಮರಿಯನ್ನೂ
ಕಾಣುವಿರಿ. ಅವುಗಳನ್ನು ಬಿಚ್ಚಿ ನನ್ನ ಹತ್ತಿರಕ್ಕೆ ಹಿಡುಕೊಂಡು ಬನ್ನಿರಿ. ೩ ಯಾವನಾದರೂ
ನಿಮಗೆ ಏನಾದರೂ ಹೇಳಿದರೆ ಇವು ನಮ್ಮ ಸ್ವಾಮಿಗೆ ಬೇಕಾಗಿವೆ ಅನ್ನಿರಿ. ಕೂಡಲೆ
ಅವುಗಳನ್ನು ಬಿಟ್ಟು ಕೊಡುವನು ಎಂದು ಹೇಳಿ ಕಳುಹಿಸಿದನು. ೪ ಒಬ್ಬ ಪೃವಾದಿಯ ಮುಖಾಂತರ
ಹೇಳಿದ ಮಾತು ಏನಂದರೆ – ೫ ಚೀಯೋನ ನಗರಿಗೆ ನೋಡು ನಿನ್ನ ಅರಸನು ನಿನ್ನ ಬಳಿಗೆ
ಬರುತ್ತಾನೆ.ಆತನು ಶಾಂತಗುಣವುಳ್ಳವನಾಗಿಯೂ ಕತ್ತೆಯನ್ನು ಹೌದು ಪ್ರಾಯದ ಕತ್ತೆಮರಿಯನ್ನು
ಹತ್ತಿದವನಾಗಿಯೂ ಬರುತ್ತಾನೆಂದು ಹೇಳಿರಿ ಎಂಬುದು. ೬ ಆಗ ಶಿಷ್ಯರು ಹೋಗಿ ಯೇಸು
ತಮಗೆ ಅಪ್ಪಣೆಕೊಟ್ಟಂತೆಯೇ, ೭ ಕತ್ತೆಯನ್ನೂ ಮರಿಯನ್ನೂ ತಂದು ಅವುಗಳ ಮೇಲೆ ತಮ್ಮ
ಬಟ್ಟೆಗಳನ್ನು ಹಾಕಲು ಆತನು ಹತ್ತಿ ಕೂತುಕೊಂಡನು. ೮ ಆಗ ಜನರ ಗುಂಪಿನಲ್ಲು ಬಹಳ ಮಂದಿ ತಮ್ಮ
ಬಟ್ಟೆಗಳನ್ನು ದಾರಿಯಲ್ಲಿ ಹಾಸಿದರು. ಬೇರೆ ಕೆಲವರು ಮರಗಳಿಂದ ಚಿಗುರುಗಳನ್ನು ಕೊಯಿದು
ದಾರಿಯಲ್ಲಿ ಹರಡುತ್ತಿದ್ದರು. ೯ ಆತನ ಹಿಂದೆಯೂ ಮುಂದೆಯೂ ಗುಂಪಾಗಿ ಹೋಗುತ್ತಿದ್ದ
ಜನರು – ದಾವೀದನ ಕುಮಾರನಿಗೆ ಜಯ ಕರ್ತನ ಹೆಸರಿನಲ್ಲಿ ಬರುವವನಿಗೆ ಆಶೀರ್ವಾದ.
ಮೇಲಣ ಲೋಕಗಳಲ್ಲಿ ಜಯ ಎಂದು ಆರ್ಭಟಿಸಿದರು. ೧೦ ಆತನು ಯೇರೂಸಲೇಮನ್ನು ಸೇರಲು
ಪಟ್ಟಣವೆಲ್ಲಾ ಗದ್ದಲವಾಗಿ ಈತನು ಯಾರು? ಅಂದರು. ೧೧ ಅದಕ್ಕೆ ಆ ಜನರ ಗುಂಪಿನವರು – ಈತನು
ಆ ಪ್ರವಾದಿ ಗಲಿಲಾಯದ ನಜರೇತಿನ ಯೇಸು ಅಂದರು.

## ಯೇಸು ದೇವಾಲಯದಲ್ಲಿದ್ದ ವ್ಯಾಪಾರವನ್ನು ಹೊರಡಿಸಿದ್ದು. ಆತನ ಮಾತಿಗೆ ಅಂಜೂರದ ಮರವು ಒಣಗಿಹೋದದ್ದು.

(ಮಾರ್ಕ ೧೧.೧೧-೨೪. ಲೂಕ ೧೯.೪೫-೪೮.)

೧೨ ಬಳಿಕ ಯೇಸು ದೇವಾಲಯಕ್ಕೆ ಹೋಗಿ ಅದರಲ್ಲಿ ಮಾರುವ ಕೊಳ್ಳುವ ಎಲ್ಲರನ್ನೂ
ಹೊರಡಿಸಿಬಿಟ್ಟು ಚಿನಿವಾರರ ಮೇಜುಗಳನ್ನೂ ಪಾರಿವಾಳ ಮಾರುವವರ ಕಾಲ್ಮಣೆಗಳನ್ನೂ
ಕೆಡವಿ – ೧೩ ಅವರಿಗೆ ನನ್ನ ಆಲಯವು ಪ್ರಾರ್ಥಾಲಯವೆನಿಸಿಕೊಳ್ಳುವದುಎಂದು
ಬರೆದಿದೆ.ಆದರೆ ನೀವು ಅದನ್ನು ಕಳ್ಳರ ಗವಿ ಮಾಡುತ್ತೀರಿ ಎಂದು ಹೇಳಿದನು. ೧೪ ಆಗ ಕುರುಡರು
ಕುಂಟರು ದೇವಾಲಯದಲ್ಲಿ ಆತನ ಬಳಿಗೆ ಬರಲು ಅವರನ್ನು ಸ್ವಸ್ಥ ಮಾಡಿದನು. ೧೫ ಆದರೆ
ಮಹಾಯಾಜಕರೂ ಶಾಸ್ತ್ರಿಆತನು ಮಾಡಿದ ಆಶ್ಚರ್ಯಕರವಾದ ಕಾರ್ಯಗಳನ್ನೂ ದಾವೀದನ
ಕುಮಾರನಿಗೆ ಜಯ ಜಯವೆಂದು ದೇವಾಲಯದಲ್ಲಿ ಕೂಗುತ್ತಿರುವ ಹುಡುಗರನ್ನು ನೋಡಿ
ಸಿಟ್ಟುಗೊಂಡು ೧೬ ಆತನಿಗೆ –ಇವರು ಹೇಳುವದನ್ನು ಕೇಳುತ್ತೀಯಾ ಎಂದು ಹೇಳನು ಯೇಸು –
ಹೌದು ಕೇಳುತ್ತೇನೆ.ಸಣ್ಣ ಮಕ್ಕಳ ಬಾಯಿಂಲೂ ಮೊಲೇಕೂಸುಗಳ ಬಾಯಿಂದಲೂ ಸ್ತೋತ್ರವನ್ನು
ಸಿದ್ಧಿಗೆ ತಂದಿ ಎಂಬದನ್ನು ನೀವು ಎಂದಾದರೂ ಓದಲಿಲ್ಲವೋ? ಅಂದನು. ೧೭ ಬಳಿಕ ಅವರನ್ನು
ಬಿಟ್ಟು ಪಟ್ಟಣದಿಂದ ಹೊರಟು ಬೇಥಾನ್ಯಕ್ಕೆ ಬಂದು ಅಲ್ಲಿ ರಾತ್ರಿಇಳುಕೊಂಡನು.
೧೮ ಬೆಳಿಗ್ಗೆ ಆತನು ಪಟ್ಟಣಕ್ಕೆ ತಿರಿಗಿ ಹೋಗುತ್ತಿರುವಾಗ ಹಸಿದನು. ೧೯ ದಾರಿಯಲ್ಲಿ ಒಂದು
ಅಂಜೂರದ ಮರವನ್ನು ಕಂಡು ಅದರ ಹತ್ತಿರಕ್ಕೆ ಹೋಗಿ ಅದರಲ್ಲಿ ಬರೀ ಎಲೆಗಳನ್ನೇ ಹೊರತು
ಮತ್ತೇನೂ ಕಾಣದೆ ಅದಕ್ಕೆ – ಇನ್ನು ಮೇಲೆ ನಿನ್ನಲ್ಲಿ ಫಲವು ಎಂದೆಂದಿಗೂ ಆಗದೆ ಹೋಗಲಿ
ಎಂದು ಹೇಳಿದನು. ಆ ಕ್ಷಣವೇ ಆ ಅಂಜೂರದ ಮರವು ಒಣಗಿ ಹೋಯಿತು. ೨೦ ಶಿಷ್ಯರು ಅದನ್ನು
ನೋಡಿ ಬೆರಗಾಗಿ – ಈ ಅಂಜೂರದ ಮರವು ಒಂದು ಕ್ಷಣದಲ್ಲೇ ಒಣಗಿಹೋಯಿತಲ್ಲಾ ಅದು
ಹೇಗೆ? ಅಂದರು. ೨೧ ಅದಕ್ಕೆ ಯೇಸು ನಿಮಗೆ ಸತ್ಯವಾಗಿ ಹೇಳುತ್ತೆನೆ ನೀವು ಸಂಶಯ ಪಡದೆ
ನಂಬಿದರೆ ನಾನು ಅಂಜೂರೊ ಮರಕ್ಕೆ ಮಾಡಿದಂಥದನ್ನು ನೀವು ಮಾಡುವಿರಿ. ಇದು ಮಾತ್ರವಲ್ಲದೆ
ಈ ಬೆಟ್ಟಕ್ಕೆ – ನೀನು ಕಿತ್ತುಕೊಂಡು ಹೋಗಿ ಸಮುದ್ರದಲ್ಲಿ ಬೀಳು ಎಂದು ಹೇಳಿದರೆ ಅದೂ
ಆಗುವದು. ೨೨ ನೀವು ನಂಬಿಕೊಂಡು ಪ್ರಾರ್ಥನೆಯಲ್ಲಿ ಏನೇನು ಬೇಡಿಕೊಳ್ಳುವಿರೋ ಅದನ್ನೆಲ್ಲಾ
ಹೊಂದುವಿರಿ.

## ಶಾಸ್ತ್ರಿಗಳು ಯೇಸುವಿನ ಅಧಿಕಾರವನ್ನು ವಿಚಾರಿಸಿದಾಗ ಆತನು ತಕ್ಕ ಉತ್ತರ ಕೊಟ್ಟು ಅವರು ಮಾಡಿದ ದೈವದ್ರೋಹವನ್ನು ತೋರಿಸುವದಕ್ಕಾಗಿ ಮೂರು ಸಾಮ್ಯಗಳನ್ನು ಹೇಳಿದ್ದು

(ಮಾರ್ಕ ೧೧ ೨೭- ೧೨.೧೨; ಲೂಕ ೨೦. ೧-೧೯, ೧೪. ೧೬-೨೪)

೨೩ ತರುವಾಯ ಆತನು ದೇವಾಲಯಕ್ಕೆ ಬಂದು ಬೋಧಿಸುತ್ತಿರುವಾಗ ಮಹಾಯಾಜಕರೂ
ಪ್ರಜೆಯ ಹಿರಿಯರೂ ಆತನ ಬಳಿಗೆ ಬಂದು ನೀನು ಯಾವ ಅಧಿಕಾರದಿಂದ ಇದನ್ನೆಲ್ಲಾ
ಮಾಡುತ್ತೀ? ಈ ಅಧಿಕಾರವನ್ನು ನಿನಗೆ ಯಾರು ಕೊಟ್ಟರು ಎಂದು ಕೇಳಲು ೨೪ ಯೇಸು
ಅವರಿಗೆ ಹೇಳಿದ್ದೇನಂದರೆ – ನಾನು ಸಹ ನಿಮ್ಮನ್ನು ಒಂದು ಮಾತು ಕೇಳುತ್ತೇನೆ ಅದನ್ನು
ನೀವು ನನಗೆ ಹೇಳಿದರೆ ನಾನೂ ಯಾವ ಅಧಿಕಾರದಿಂದ ಇದನ್ನು ಮಾಡುತ್ತೇನೆಂಬದನ್ನು
ನಿಮಗೆ ಹೇಳುತ್ತೇನೆ ೨೫ ದೀಕ್ಷಾಸ್ನಾನ ಮಾಡಿಸುವ ಅಧಿಕಾರವು ಯೋಹಾನನಿಗೆ
ಎಲ್ಲಿಂದ ಬಂತು ? ಪರಲೋಕದಿಂದಲೋ? ಮನುಷ್ಯರಿಂದಲೋ ಅಂದನು. ಆಗ ಅವರು
– ಪರಲೋಕದಿಂದ ಬಂತೆಂದು ನಾವು ಹೇಳಿದರೆ ಹಾಗಾದರೆ ನೀವು ಅವನನ್ನು ಯಾಕೆ
ನಂಬಲಿಲ್ಲ ಎಂದು ನಮಗೆ ಹೇಳಾನು. ೨೬ ಮನುಷ್ಯರಿಂದ ಬಂತೆಂದು ಹೇಳಿದರೆ ನಮಗೆ
ಜನರ ಭಯವದೆ ಯೋಹಾನನು ಪ್ರವಾದಿಯೆಂದು ಎಲ್ಲರೂ ಎಣಿಸಿದ್ದಾರಲ್ಲಾ ಎಂಬದಾಗಿ
ತಮ್ಮತಮಚಮೊಳಗೆ ಮಾತಾಡಿಕೊಳ್ಳುತ್ತಿದ್ದರು. ೨೭ ಕಡೆಗೆ ಅವರು ಪಾವರಿಯೆವು ಎಂದು
ಯೇಸುವಿಗೆ ಉತ್ತರಕೊಟ್ಟರು. ಆಗ ಆತನು ಅವರಿಗೆ – ಯಾವ ಅಧಿಕಾರದಿಂದ ಇದನ್ನೆಲ್ಲಾ
ಮಾಡುತ್ತೇನೋ ಅದನ್ನು ನಾನೂ ನಿಮಗೆ ಹೇಳುವದಿಲ್ಲ. ೨೮ ಆದರೆ ನಿಮಗೆ ಹೇಗೆ
ತೋರುತ್ತದೆ. ? ಒಬ್ಬ ಮನುಷ್ಯನಿಗೆ ಇಬ್ಬರು ಮಕ್ಕಳಿದ್ದರು. ಅವನು ಮೊದಲನೆಯವನ
ಬಳಿಗೆ ಬಂದು – ಮಗನೇ ಹೋಗಿ ಈ ಹೊತ್ತು ದ್ರಾಕ್ಷೇತೋಟದಲ್ಲಿ ಕೆಲಸ ಮಾಡು ಅಂದಾಗ
೨೯ ಅವನು ನಾನು ಹೋಗುವದಿಲ್ಲವೆಂದು ಹೇಳಿದ್ದಾಗ್ಯೂತರುವಾಯ ಪಶ್ಚಾತ್ತಾಪಪಟ್ಟು ತೋಟಕ್ಕೆ
ಹೋದನು. ೩೦ ಆಮೇಲೆ ಎರಡನೆಯವನ ಬಳಿಗೆ ಬಂದು ಅದೇ ಮಾತನ್ನು ಹೇಳಿದಾಗ
ಅವನು – ಹೋಗುತ್ತೇನಪ್ಪಾ ಅಂದಾಗ್ಯೂ ಹೋಗಲೇ ಇಲ್ಲ. ೩೧ ಅವರಿಬ್ಬರಲ್ಲಿ ತಂದೆಯ
ಚಿತ್ತದಂತೆ ನಡೆದವನು ಯಾರು? ಎಂದು ಕೇಳಿದ್ದಕ್ಕೆ ಅವರು ಮೊಲನೆಯವನೇ ಅಂದರು.
ಆಗ ಯೇಸು ಅವರಿಗೆ –ಭ್ರಷ್ಟರೂ ಸೂಳೆಯರೂ ನಿಮಗಿಂತ ಮೊದಲು ದೇವರ ರಾಜ್ಯವನ್ನು
ಸೇರುವರು. ಎಂದು ನಿಮಗೆ ಸತ್ಯವಾಗಿ ಹೇಳುತ್ತೇನೆ. ೩೨ ಯೋಹಾನನು ಧರ್ಮ ಮಾರ್ಗವನ್ನು
ಬೋಧಿಸುವವನಾಗಿ ನಿಮ್ಮ ಬಳಿಗೆ ಬಂದನು. ನೀವು ಅವನನ್ನು ನಂಬಲಿಲ್ಲ. –ಭ್ರಷ್ಟರೂ
ಸೂಳೆಯರೂ ಅವನನ್ನು ನಂಬಿದರು. ನೀವು ಇದನ್ನು ನೋಡಿದ್ದಾಗ್ಯೂ ಪಶ್ಚಾತ್ತಾಪ ಪಡಲಿಲ್ಲ.
ಅವನನ್ನು ನಂಬಲಿಲ್ಲ.

೩೩ ಮತ್ತೊಂದು ಸಾಮ್ಯವನ್ನು ಕೇಳಿರಿ. ಒಬ್ಬ ಮನೆಯ ಯಜಮಾನನಿದ್ದನು. ಅವನು ಒಂದು
ದ್ರಾಕ್ಷೇತೋಟವನ್ನು ಮಾಡಿ ಅದರ ಸುತ್ತಲೂ ಬೇಲಿ ಹಾಕಿಸಿ ಅದರಲ್ಲಿ ದ್ರಾಕ್ಷೇಯ ಅಲೆಯನ್ನು
ಮಾಡಿಸಿ ಹೊಡೆಯನ್ನು ಕಟ್ಟಿಸಿ ಒಕ್ಕಲಿಗರಿಗೆ ಪಾರಕ್ಕೆ ಕೊಟ್ಟು ಬೇರೊಂದು ದೇಶಕ್ಕೆ
ಹೋದನು. ೩೪ ಫಲಕಾಲ ಹತ್ತಿರವಾದಾಗ ತನಗೆ ಬರಬೇಕಿದ ಹಣ್ಣುಗಳನ್ನು ತೆಗೆದುಕೊಂಡು
ಬರುವದಕ್ಕೆಗೆ ಆ ಒಕ್ಕಲಿಗರ ಬಳಿಗೆ ತನ್ನ ಆಳುಗಳನ್ನು ಕಳುಹಿಸಲು , ೩೫ ಒಕ್ಕಲಿಗರು ಅವನ
ಆಳುಗಳನ್ನು ಹಿಡುಕೊಂಡು ಒಬ್ಬನನ್ನು ಹೊಡೆದರು. ಒಬ್ಬನನ್ನು ಕಡಿದು ಹಾಕಿದರು. ಒಬ್ಬನನ್ನು
ಕಲ್ಲೆಸೆದು ಕೊಂದರು. ೩೬ ಪುನಃ ಮೊಲಿನವರಿಗಿಂತ ಹೆಚ್ಚಾದ ಆಳುಗಳನ್ನು ಕಳುಹಿಸಿದನು.
ಅವರಿಗೂ ಹಾಗೆಯೇ ಮಾಡಿದರು. ೩೭ ಕಡೆಯಲ್ಲಿ ನನ್ನ ಮಗನಿಗಾದರೂ ಮರ್ಯಾದೆ
ತೋರಿಸಾರು ಅಂದುಕೊಂಡು ತನ್ನ ಮಗನನ್ನು ಅವರ ಬಳಿಗೆ ಕಳುಹಿಸಿದನು. ೩೮ ಆದರೆ ಆ
ಒಕ್ಕಲಿಗರು ಅವನ ಮಗನನ್ನು ಕಂಡು- ಇವನೇ ಭಾಧ್ಯಸ್ಥನು ಬನ್ನಿ ಇವನನ್ನು ಕೊಂದು ಹಾಕೋಣ
ಇವನ ಸ್ವಾಸ್ಥ್ಯವನ್ನು ನಾವೇ ತೆಗೆದುಕೊಳ್ಳೋಣ ಎಂದು ತಮ್ಮತಮ್ಮೊಳಗೆ ಮಾತಾಡಿಕೊಂಡು
೩೯ ಅವನನ್ನು ಹಿಡಿದು ದ್ರಾಕ್ಷೇತೋಟದಿಂದ ಹೊರಕ್ಕೆ ದೊಬ್ಬಿ ಕೊಂದು ಹಾಕಿದರು. ೪೦ ಹಾಗಾದರೆ
ದ್ರಾಕ್ಷೇತೋಟದ ಧಣಿಯು ಬಂದಾಗ ಆ ಒಕ್ಕಲಿಗರಿಗೆ ಏನು ಮಾಡುವನು ಅಂದನು. ೪೧ ಅವರು
ಆತನಿಗೆ – ಆ ಕೆಡುಕರನ್ನು ಕ್ರೂರವಾಗಿ ಸಂಹರಿಸಿ ಕಾಲಕಾಲಕ್ಕೆ ಹಣ್ಣುಗಳನ್ನು ತನಗೆ ಸಲ್ಲಿಸುವಂಥ
ಬೇರೆ ಒಕ್ಕಲಿಗರಿಗೆ ತನ್ನ ತೋಟವನ್ನು ಪಾರಕ್ಕೆ ಕೊಡುವನು ಎಂದು ಹೇಳಿದರು. ೪೨ ಯೇಸು
ಅವರಿಗೆ - ಮನೆ ಕಟ್ಟುವವರು ಬೇಡವೆಂದು ಬಿಟ್ಟ ಕಲ್ಲೇ ಮುಖ್ಯವಾದ ಮೂಲೆಗಲ್ಲಾಯಿತು.
ಇದು ಕರ್ತನಿಂದಲೇ ಆಯಿತು. ನಮಗೆ ಆಶ್ಚರ್ಯವಾಗಿ ತೋರುತ್ತದೆ. ಎಂಬುವ ಮಾತನ್ನು
ನೀವು ಶಾಸ್ತ್ರದಲ್ಲಿ ಎಂದಾದರೂ ಓದಲಿಲ್ಲವೋ? ೪೩ ಆದದರಿಂದ ದೇವರ ರಾಜ್ಯವು ನಿಮ್ಮಿಂದ

ತೆಗೆಯಲ್ಪಟ್ಟು ಅದರ ಫಲಗಳನ್ನು ಕೊಡುವ ಜನಕ್ಕೆ ಕೊಡಲಾಗುವದು. ೪೪ ಈ ಕಲ್ಲಿನ ಮೇಲೆ
ಬೀಳುವವನು ತುಂಡು ತುಂಡಾಗುವನು. ಇದು ಯಾರ ಮೇಲೆ ಬೀಳುತ್ತದೋ ಅವನನ್ನು ಪುಡಿಪುಡಿ
ಮಾಡುವದು. ಎಂದು ಹೇಳಿದನು. ೪೫ ಮಹಾಯಾಜಕರೂ ಫರಿಸಾಯರೂ ಆತನ ಸಾಮ್ಯಗಳನ್ನು
ಕೇಳಿ ತಮ್ಮನ್ನೇ ಕುರಿತು ಮಾತಾಡುತ್ತಾನೆಂದು ತಿಳುಕೊಂಡು ಆತನನ್ನು ಹಿಡಿಯುವದಕ್ಕೆ ಸಂದರ್ಭ
ನೋಡುತ್ತಿದ್ದರು. ೪೬ ಆದರೆ ಜನರು ಆತನನ್ನು ಪ್ರವಾದಿಯೆಂದು ಎಣಿಸಿದ್ದರಿಂದ ಅವರಿಗೆ
ಭಯಪಟ್ಟರು. ೬

೨೨ ೧ ಯೇಸು ಬೋಧನೆ ಮಾಡುತ್ತಾ ಇನ್ನೂ ಸಾಮ್ಯರೂಪವಾಗಿ ಅವರಿಗೆ ಹೇಳಿದ್ದೇನಂದರೆ
– ೨ ಪರಲೋಕರಾಜ್ಯವು ಮಗನಿಗೆ ಮದುವೆ ಮಾಡಿದ ಒಬ್ಬ ಅರಸನಿಗೆ
ಹೋಲಿಕೆಯಾಗಿದೆ. ೩ ಅವನು ಮದುವೆಗೆ ಹೇಳಿಸಿಕೊಂಡವರನ್ನು ಕರೆಯುವದಕ್ಕೆ ತನ್ನ
ಆಳುಗಳನ್ನು ಕಳುಹಿಸಲು ಬರುವದಕ್ಕೆ ಅವರಿಗೆ ಮನಸ್ಸಿರಲಿಲ್ಲ. ೪ ತಿರುಗಿ ಬೇರೆ ಆಳುಗಳನ್ನು
ಕರೆದು ನೀವು ಊಟಕ್ಕೆ ಹೇಳಿಸಿಕೊಂಡವರ ಬಳಿಗೆ ಹೋಗಿ ಇಗೋ ಅಡಿಗೆ ಸಿದ್ದವಾಗಿದೆ
ನನ್ನ ಹೋರಿಗಳನ್ನೂ ಕೊಬ್ಬಿದ ದಶುಗಳನ್ನೂ ಕೊಯಿಸಿದ್ದೇನೆ. ಎಲ್ಲಾ ಸಿದ್ಧವಾಗಿದೆ
ಮದುವೆಯ ಊಟಕ್ಕೆ ಬನ್ನಿರಿ ಎಂಬದಾಗಿ ಅವರಿಗೆ ಹೇಳಿರೆಂದು ಅಪ್ಪಣೆ ಕೊಟ್ಟು
ಕಳುಹಿಸಿದನು. ೫ ಆದರೆ ಅವರು ಅಲಕ್ಷ ಮಾಡಿ ಒಬ್ಬನು ತನ್ನ ಹೊಲಕ್ಕೆ ಒಬ್ಬನು ತನ್ನ ವ್ಯಾಪಾರಕ್ಕೆ
ಹೋಗಿಬಿಟ್ಟನು. ೬ ಉಳಿದವರು ಅವನ ಆಳುಗಳನ್ನು ಹಿಡಿದು ಬೈದು ಕೊಂದು ಹಾಕಿದರು.
೭ ಅರಸನು ಸಿಟ್ಟುಗೊಂಡು ತನ್ನ ದಂಡುಗಳನ್ನು ಕಳುಹಿಸಿ ಆ ಕೊಲೆಗಾರರನ್ನು ನಾಶಮಾಡಿ ಅವರ
ಪಟ್ಟಣವನ್ನು ಸುಟ್ಟುಬಿಟ್ಟನು. ೮ ಆಗ ತನ್ನ ಆಳುಗಳಿಗೆ – ಮದುವೆಗೆ ಸಿದ್ದವಾಗಿದೆ ಸರಿ ಆದರೆ
ಕರೆಯಲ್ಪಟ್ಟವರು ಯೋಗ್ಯರಾಗಲಿಲ್ಲ ೯ ನೀವು ಈಗ ನಾಲ್ಕು ಹಾದಿಗಳು ಕೂಡುವ ಸ್ಥಳಗಳಿಗೆ
ಹೋಗಿ ಕಂಡವರನ್ನೆಲ್ಲಾ ಮದುವೆಯ ಊಟಕ್ಕೆ ಕರೆಯಿರಿ ಎಂದು ಹೇಳಿದನು. ೧೦ ಆ ಆಳುಗಳು
ಹಾದಿಗಳಿಗೆ ಹೋಗಿ ಕೆಟ್ಟವರು ಒಳ್ಳೆಯವರು ಅನ್ನದೇ ಕಂಡವರನ್ನೆಲ್ಲಾ ಕೂಡಿಸಿ ಕರಕೊಂಡು
ಬಂದರು. ಹೀಗೆ ಮನೆತುಂಬಾ ಊಟಕ್ಕೆ ಕೂತರು. ೧೧ ಆಮೇಲೆ ಅರಸನು ಕೂತವರನ್ನು
ನೋಡುವದಕ್ಕೆ ಒಳಕ್ಕೆ ಬರಲಾಗಿ ಮದುವೆಬಟ್ಟೆಯನ್ನು ಹಾಕಿಕೊಳ್ಳದ ಒಬ್ಬನನ್ನು ಕಂಡು
೧೨ ಏನಪ್ಪಾ ಮದುವೆಯ ಬಟ್ಟೆ ಇಲ್ಲದೆ ನೀನಿಲ್ಲಿ ಹೇಗೆ ಒಳಕ್ಕೆ ಬಂದಿ ಎಂದು ಕೇಳಲು ಅವನು
ಸುಮ್ಮನಿದ್ದನು. ೧೩ ಆ ಮೇಲೆ ಅರಸನು ಸೇವಕನಿಗೆ – ಅವನ ಕೈ ಕಾಲು ಕಟ್ಟಿ ಅವನನ್ನು ಹೊರಕ್ಕೆ
ಕತ್ತಲೆಗೆ ನೂಕಿರಿ ಎಂದು ಹೇಳಿದನು. ಅಲ್ಲಿ ಗೋಳಾಟವೂ ಕಟಕಟನೆ ಹಲ್ಲು ಕಡಿಯೋಣವೂ
ಇರುವವು. ೧೪ ಹೀಗೆ ಕರೆಯಲ್ಪಟ್ಟವರು ಬಹು ಜನ ಆಯಲ್ಪಟ್ಟವರು ಸ್ವಲ್ಪ ಜನ ಅಂದನು.

ಅನೇಕರು ಯೇಸುವನ್ನು ಮಾತಿನಲ್ಲಿ ಸಿಕ್ಕಿಸುವದಕ್ಕೆ ಪ್ರಯತ್ನಪಟ್ಟು ಸೋತುಹೋದದ್ದು.

(ಮಾರ್ಕ ೧೨. ೧೩- ೩೭ ಲೂಕ ೨೦. ೨೦ -೪೪ )

೧೫ ಆಗ್ಗೆ ಫರಿಸಾಯರು ಹೊರಟು ಆತನನ್ನು ಮಾತಿನಲ್ಲಿ ಹೇಗೆ ಸಿಕ್ಕಿಸುವ ಎಂದು ಕೂಡಿ
ಆಲೋಚಿಸಿಕೊಂಡು, ೧೬ ಆತನ ಬಳಿಗೆ ತಮ್ಮ ಶಿಷ್ಯರನ್ನು ಹೆರೋದಿಯರ ಕೂಡ ಕಳುಹಿಸಿದನು.
ಇವರು ಬಂದು ಗುರುವೇ, ನೀನು ಸತ್ಯವಂತನು ದೇವರ ಮಾರ್ಗವನ್ನು ಸತ್ಯವಾಗಿ ಬೋಧಿಸುವವನು
ಯಾರಿಗೂ ಹೆದರದವನು, ನೀನು ಜನರ ಮುಖದೆಚ್ಚೆಗೆ ಮಾತಾಡುವವನಲ್ಲ ಎಂದು ಬಲ್ಲೆವು.
೧೭ ಹೀಗಿರಲಾಗಿ ಕೈಸರನಿಗೆ ತೆರಿಗೆ ಕೊಡುವದು ಸರಿಯೋ ಸರಿಯಲ್ಲವೋ ? ನಿನಗೆ ಹೇಗೆ
ತೋರುತ್ತದೆ? ನಮಗೆ ಹೇಳು ಅಂದರು. ೧೮ ಯೇಸು ಅವರ ಕೆಡುಕನ್ನು ಅರಿತುಕೊಂಡವನಾಗಿ
ಕಪಟಿಗಳೇ ನನ್ನನ್ನು ಯಾಕೆ ಪರೀಕ್ಷೆ ಮಾಡುತ್ತೀರಿ? ೧೯ ತೆರಿಗೆಗೆ ಕೊಡುವ ನಾಣ್ಯವನ್ನು ನನಗೆ
ತೋರಿಸಿರಿ ಅನ್ನಲು ಅವರು ಆತನಿಗೆ ಒಂದು ಹಣವನ್ನು ತಂದು ಕೊಟ್ಟರು. ೨೦ ಆತನು ಈ ತಲೆಯು
ಈ ಮುದ್ರೆಯು ಯಾರದು ಎಂದು ಕೇಳಿದ್ದಕ್ಕೆ, ೨೧ ಅವರು ಕೈಸರನದು ಅಂದರು. ಆಗ ಆತನು
ಅವರಿಗೆ ಹಾಗಾದರೆ ಕೈಸರನದನ್ನು ಕೈಸರನಿಗೆ ಕೊಡಿರಿ. ದೇವರದನ್ನು ದೇವರಿಗೆ ಕೊಡಿರಿ
ಎಂದು ಹೇಳಿದನು. ೨೨ ಅವರು ಈ ಮಾತನ್ನು ಕೇಳಿ ಆಶ್ಚರ್ಯಪಟ್ಟು ಆತನನ್ನು ಬಿಟ್ಟು ಹೋದರು.

೨೩ ಅದೇ ದಿನದಲ್ಲಿ ಸದ್ದುಕಾಯರು ಆತನ ಬಳಿಗೆ ಬಂದರು. ಇವರು ಪುನರುತ್ಥಾನವಿಲ್ಲ
ಅನ್ನುವವರು. ೨೪ ಇವರು ಆತನಿಗೆ ಪ್ರಶ್ನೆಮಾಡಿದ್ದೇನಂದರೆ – ಬೋಧಕನೇ ಒಬ್ಬನು ಮಕ್ಕಳಿಲ್ಲದೆ
ಸತ್ತರೆ ಅವನ ಹೆಂಡತಿಯನ್ನು ಅವನ ತಮ್ಮನು ಮದುವೆಮಾಡಿಕೊಂಡು ತನ್ನ ಅಣ್ಣನಿಗೆ
ಸಂತಾನವನ್ನು ಪಡೆಯಬೇಕೆಂದು ಮೋಶೆಯು ಹೇಳಿದನಷ್ಟೆ. ೨೫ ಆದರೆ ನಮ್ಮಲ್ಲಿ ಏಳು
ಮಂದಿ ಅಣ್ಣತಮ್ಮಂದಿರಿದ್ದರು.ಮೊದಲವೆಯವನು ಮದುವೆ ಆಗಿ ತೀರಿಹೋದನು.ಅವನಿಗೆ
ಸಂತಾನವಿಲ್ಲದ ಕಾರಣ ಹೆಂಡತಿಯನ್ನು ತನ್ನ ತಮ್ಮನಿಗೆ ಬಿಟ್ಟನು. ೨೬ ಅದರಂತೆ ಎರಡನೆಯವನು

ಮೂರನೆಯವನೂ ಮುಂತಾದವರು ಏಳನೇಯವನ ವರೆಗೂ ಮಾಡಿದರು. [೨೭] ಅವರೆಲ್ಲರು ಸತ್ತ
ಮೇಲೆ ಆ ಹೆಂಗಸು ಸತ್ತಳು [೨೮] ಹಾಗಾದರೆ ಪುನರುತ್ಥಾನದಲ್ಲಿ ಆಕೆ ಆ ಏಲು ಮಂದಿಯಲ್ಲಿ ಯಾರ
ಹೆಂಡತಿಯಾಗಿರುವಳು? ಆಕೆಯನ್ನು ಅವರೆಲ್ಲರೂ ಮದುವೆಮಾಡಿಕೊಂಡಿದ್ದರಲ್ಲಾ ಅಂದರು.
[೨೯] ಅದಕ್ಕೆ ಯೇಸು ಉತ್ತರವಾಗಿ ಅವರಿಗೆ ನೀವು ಶಾಸ್ತ್ರವನ್ನಾದರೂ ದೇವರ ಶಕ್ತಿಯನ್ನಾದರೂ
ತಿಳಿಯದೆ ತಪ್ಪುವವರಾಗಿದ್ದೀರಿ. [೩೦] ಪುನರುತ್ಥಾನವಾದ ಮೇಲೆ ಮದುವೆಮಾಡಿಕೊಳ್ಳುವದೂ
ಇಲ್ಲ. ಮಾಡಿಕೊಡುವದೂ ಇಲ್ಲ. ಪರಲೀಕದಲ್ಲಿರುವ ದೇವದೂತರಂತೆ ಇರುತ್ತಾರೆ. [೩೧] ಸತ್ತವರ
ಪುನರುತ್ಥಾನದ ವಿಷಯವಾಗಿ ಹೇಳಬೇಕಾದರೆ , [೩೨] ನಾನು ಅಬ್ರಹಾಮನ ದೇವರು ಇಸಾಕನ
ದೇವರು ಯಾಕೋಬನ ದೇವರು ಎಂದು ದೇವರು ನಿಮಗೆ ನುಡಿದಿದ್ದನ್ನು ನೀವು ಓದಲಿಲ್ಲವೇ.
ಆತನು ಜೀವಿತರಿಗೆ ದೇವರಾಗಿದ್ದಾನೆ ಹೊರತು ಜೀವವಿಲ್ಲದವರಿಗೆ ಅಲ್ಲ ಎಂದು ಹೇಳಿದನು.
[೩೩] ಜನರು ಅದನ್ನು ಕೇಳಿ ಆತನ ಬೋಧನೆಗೆ ಅತ್ಯಾಶ್ಚರ್ಯ ಪಟ್ಟರು.
[೩೪] ಆತನು ಸದ್ದುಕಾಯರ ಬಾಯಿ ಕಟ್ಟಿದನೆಂದು ಫರಿಸಾಯರು ಕೇಳಿ ಅಲ್ಲಿಗೆ ಕೂಡಿ ಬಂದರು.
[೩೫] ಅವರಲ್ಲಿದ್ದ ಒಬ್ಬ ಧರ್ಮೋಪದೇಶಕನು ಆತನನ್ನು ಪರೀಕ್ಷೆ ಮಾಡಬೇಕೆಂದು – [೩೬] ಗುರುವೇ,
ಧರ್ಮಶಾಸ್ತ್ರದಲ್ಲಿ ಯಾವ ಆಜ್ಞೆ ಮುಖ್ಯವಾದದ್ದು ಎಂದು ಆತನನ್ನು ಕೇಳಿದ್ದಕ್ಕೆ [೩೭] ಆತನು ನಿನ್ನ
ದೇವರಾಗಿರುವ ಕರ್ತನನ್ನು ನಿನ್ನ ಪೂರ್ಣ ಹೃದಯದಿಂದಲೂ ನಿನ್ನ ಪೂರ್ಣ ಪ್ರಾಣದಿಂದಲೂ
ನಿನ್ನ ಪೂರ್ಣ ಬುದ್ಧಿಯಿಂದಲೂ ಪ್ರೀತಿಸಬೇಕು. [೩೮] ಎಂಬ ಆಜ್ಞೆಯಯೇ ಮುಖ್ಯವಾದದ್ದು
ಮತ್ತು ಮೊದಲನೆಯದು. [೩೯] ಇದಕ್ಕೆ ಸಮಾನವಾದ ಎರಡನೆಯ ಆಜ್ಞೆ ಒಂದು ಉಂಟು ಅದು
ಯಾವದೆಂದರೆ ನಿನ್ನ ನೆರೆಯವನನ್ನು ನಿನ್ನಂತೆ ಪ್ರೀತಿಸಬೇಕು ಎಂಬದೇ. [೪೦] ಈ ಎರಡು
ಆಜ್ಞೆಗಳು ಎಲ್ಲಾ ಧರ್ಮಶಾಸ್ತ್ರಕ್ಕೂ ಪ್ರವಾದನೆಗಳ ಗ್ರಂಥಕ್ಕೂ ಆಧಾರವಾಗಿವೆ ಎಂದು ಹೇಳಿದನು.
[೪೧] ಫರಿಸಾಯರು ಕೂಡಿಬಂದಿರಲಾಗಿ ಯೇಸು ಅವರಿಗೆ [೪೨] ಬರಬೇಕಾದ ಕ್ರಿಸ್ತನ
ವಿಷಯವಾಗಿ ನಿಮಗೆ ಹೇಗೆ ತೋರುತ್ತದೆ.? ಆತನು ಯಾರ ಮಗನು ಎಂದು? ಪ್ರಶ್ನೆ ಹಾಕಿದ್ದಕ್ಕೆ
[೪೩-೪೪] ಅವರು ಆತನಿಗೆ – ದಾವೀದನ ಮಗನು ಎಂದು ಹೇಳಲು ಆತನು –ಹಾಗಾದರೆ ನಾನು ನಿನ್ನ
ವಿರೋಧಿಗಳನ್ನು ನಿನ್ನ ಪಾದಗಳ ಕೆಳಗೆ ಹಾಕುವ ತನಕ ನನ್ನ ಬಲಗಡೆಯಲ್ಲಿ ಕೂತುಕೊಂಡಿರು
ಎಂದು ಕರ್ತನು ನನ್ನ ಒಡೆಯನಿಗೆ ನುಡಿದನು. ಎಂಬ ಮಾತಿನಲ್ಲಿ ದಾವೀದನು ಪವಿತ್ರಾತ್ಮ
ಪ್ರೇರಿತನಾಗಿ ಆತನನ್ನು ಒಡೆಯನು ಅನ್ನುವದು ಹೇಗೆ? ಅಂದನು. [೪೬] ಅದಕ್ಕೆ ಉತ್ತರವಾಗಿ
ಯಾರೂ ಒಂದು ಮಾತಾದರೂ ಆತನಿಗೆ ಹೇಳಲಾರದೇ ಹೋದರು. ಇದಲ್ಲದೆ ಅಂದಿನಿಂದ
ಆತನನ್ನು ಇನ್ನೇನಾದರೂ ಕೇಳುವದಕ್ಕೆ ಯಾರಿಗೂ ಧೈರ್ಯ ಹುಟ್ಟಲಿಲ್ಲ.

### ಯೇಸು ಶಾಸ್ತ್ರಿಗಳನ್ನೂ ಫರಿಸಾಯರನ್ನೂ ಗದರಿಸಿದ್ದು
### ಯೆರೂಸಲೇಮಿನ ವಿಷಯದಲ್ಲಿ ದುಃಖಪಟ್ಟಿದ್ದು.

(ಮಾರ್ಕ ೧೨, ೩೮-೩೪; ಲೂಕ ೨೦ ;, ೪೫-೪೭)

೨೩ [೧] ತರುವಾಯ ಯೇಸು ಜನರ ಗುಂಪಿಗೂ ತನ್ನ ಶಿಷ್ಯರಿಗೂ ಹೇಳಿದ್ದೇನಂದರೆ
– [೨] ಶಾಸ್ತ್ರಿಗಳು ಫರಿಸಾಯರು ಮೋಶೆಯ ಪೀಠದಲ್ಲಿ ಕೂತುಕೊಂಡಿದ್ದಾರೆ.
[೩] ಆದದರಿಂದ ಅವರು ನಿಮಗೆ ಏನೇನು ಹೇಳುತ್ತಾರೋ ಅದನ್ನೆಲ್ಲಾ ಮಾಡಿರಿ.
ಕಾಪಾಡಿಕೊಳ್ಳಿರಿ. ಆದರೆ ಅವರ ನಡತೆಯ ಪ್ರಕಾರ ನಡೆಯಬೇಡಿರಿ. ಅವರು ಹೇಳುತ್ತಾರೇ
ಹೊರತು ನಡೆಯುವದಿಲ್ಲ. [೪] ಅವರು ಭಾರವಾದ ಹೊರೆಗೆ ಹೊರೆಗಳನ್ನು ಕಟ್ಟಿ ಜನರ ಹೆಗಲಿನ
ಮೇಲೆ ಹೊರಿಸುತ್ತಾರೆ. ತಾವಾಒರೋ ಬೆರಳಿನಿಂದಲಾದರೂ ಅವುಗಳನ್ನು ಮುಟ್ಟಲೊಲ್ಲರು.
[೫] ಅವರು ತಮ್ಮ ಕೆಲಸಗಳನ್ನೆಲ್ಲಾ ಜನರಿಗೆ ಕಾಣಬೇಕೆಂದು ಮಾಡುತ್ತಾರೆ. ತಾವು ಕಟ್ಟಿಕೊಳ್ಳುವ
ಜ್ಞಾಪಕಪಟ್ಟಿಗಳನ್ನು ಅಗಲಮಾಡುತ್ತಾರೆ. ಗೊಂಡೆಗಳನ್ನು ಉದ್ದಮಾಡುತ್ತಾರೆ. [೬] ಇದಲ್ಲದೆ
ಔತಣಪ್ರಸ್ತಗಳಲ್ಲಿ ಪ್ರಥಮಸ್ಥಾನ ಸಭಾಮಂದಿರಗಳಲ್ಲಿ ಮುಖ್ಯ ಪೀಠಗಳು [೭] ಅಂಗಡಿ ಬೀದಿಗಳಲ್ಲಿ
ನಮಸ್ಕಾರಗಳು ಜನರಿಂದ ಬೋಧಕರೆನ್ನಿಸಿಕೊಳ್ಳುವದು ಇವುಗಳೇ ಅವರಿಗೆ ಇಷ್ಟ. [೮] ಆದರೆ
ನೀವು ಬೋಧಕರೆನ್ನಿಸಿಕೊಳ್ಳಬೇಡಿರಿ. ಒಬ್ಬನೇ ನಿಮ್ಮ ಬೋಧಕನು. ನೀವೆಲ್ಲರೂ
ಸಹೋದರರು. [೯] ಇದಲ್ಲದೆ ಭೂಲೋಕದಲ್ಲಿ ಯಾರನ್ನೂ ನಿಮ್ಮ ತಂದೆ ಎಂದು ಕರೆಯಬೇಡಿರಿ.
ಪರಲೋಕದಲ್ಲಿರುವಾತನೇ ನಿಮಗೆ ತಂದೆ [೧೦] ಮತ್ತು ಗುರುಗಳು ಅನ್ನಿಸಿಕೊಳ್ಳಬೇಡಿರಿ
ಕ್ರಿಸ್ತನೊಬ್ಬನೇ ನಿಮಗೆ ಗುರುವು. [೧೧] ನಿಮ್ಮಲ್ಲಿ ಹೆಚ್ಚಿನವನು ನಿಮ್ಮ ಸೇವಕನಾಗಿರಬೇಕು.
[೧೨] ತನ್ನನ್ನು ಹೆಚ್ಚಿಸಿಕೊಳ್ಳುವವನು ತಗ್ಗಿಸಲ್ಪಡುವನು. ತನ್ನನ್ನು ತಗ್ಗಿಸಿಕೊಳ್ಳುವವನು
ಹೆಚ್ಚಿಸಲ್ಪಡುವನು.

೧೩ ಅಯ್ಯೋ ಕಪಟಿಗಳಾದ ಶಾಸ್ತ್ರಿಗಳೇ ಫರಿಸಾಯರೇ, ಪರಲೋಕರಾಜ್ಯದ ಬಾಗಲನ್ನು
ಮನುಷ್ಯರ ಎದುರಿಗೆ ಮುಚ್ಚಿಬಿಡುತ್ತೀರಿ. ನೀವಂತೂ ಒಳಕ್ಕೆ ಹೋಗುವದಿಲ್ಲ. ಒಳಕ್ಕೆ
ಹೋಗಬೇಕೆಂದಿರುವವರನ್ನೂ ಹೋಗಗೊಡಿಸುವದಿಲ್ಲ.
೧೫ ಅಯ್ಯೋ ಕಪಟಿಗಳಾದ ಶಾಸ್ತ್ರಿಗಳೇ ಫರಿಸಾಯರೇ ನೀವು ಒಬ್ಬಮನುಷ್ಯನನ್ನು ನಿಮ್ಮ
ಮತದಲ್ಲಿ ಸೇರಿಸಿಕೊಳ್ಳುವದಕ್ಕೆ ಭೂಮಿಯನ್ನು ಸಮುದ್ರವನ್ನು ಸುತ್ತಿಕೊಂಡು ಬರುತ್ತೀರಿ ಅವನು
ಸೇರಿದ ಮೇಲೆ ಅವನನ್ನು ನಿಮಗಿಂತ ಎರಡಷ್ಟಾಗಿ ನರಕ ಪಾತ್ರನಾಗ ಮಾಡುತ್ತೀರಿ.
೧೬ ಅಯ್ಯೋ ದಾರಿತೋರಿಸುವ ಕುರುಡರೇ, ಒಬ್ಬನು ದೇವಾಲಯದ ಮೇಲೆ
ಆಣೆಯಿಟ್ಟುಕೊಂಡರೆ ಅದೇನು ಆಣೆಯಲ್ಲ. ಆದರೆ ಒಬ್ಬನು ದೇವಾಲಯದ ಚಿನ್ನದ
ಮೇಲೆ ಆಣೆಯಿಟ್ಟುಕೊಂಡರೆ ಅದನ್ನು ನಡಿಸಲೇಬೇಕು ಎಂದು ನೀವು ಹೇಳುತ್ತೀರಿ.
೧೭ ಹುಚ್ಚರೇ ಕುರುಡರೇ, ಯಾವುದು ಹೆಚ್ಚಿನದು? ಚಿನ್ನವೋ? ಚಿನ್ನವನ್ನು ಪಾವನ ಮಾಡುವ
ದೇವಾಲಯವೋ? ೧೮ ಒಬ್ಬನು ಯಜ್ಞವೇದಿಯ ಮೇಲೆ ಆಣೆಯಿಟ್ಟುಕೊಂಡರೆ ಅದೇನು
ಆಣೆಯಲ್ಲ. ಆದರೆ ಅದರಲ್ಲಿರುವ ಕಾಣಿಕೆಯ ಮೇಲೆ ಆಣೆಯಿಟ್ಟುಕೊಂಡರೆ ಅದನ್ನು
ನಡಿಸಲೇಬೇಕು ಎಂದು ಹೇಳುತ್ತೀರಿ. ೧೯ ಕುರುಡರೇ ಯಾವುದು ಹೆಚ್ಚಿನದು ? ಕಾಣಿಕೆಯೋ
ಆ ಕಾಣಿಕೆಯನ್ನು ಪಾವನಮಾಡುವ ಯಜ್ಞವೇದಿಯೋ ೨೦ ಹೀಗಿರುವದರಿಂದ ಯಜ್ಞವೇದಿಯ
ಮೇಲೆ ಆಣೆಯಿಟ್ಟುಕೊಂಡರೆ ಅದರ ಮೇಲೆಯೂ ಅದರಲ್ಲಿರುವ ಎಲ್ಲಾದರ ಮೇಲೆಯೂ
ಆಣೆಯಿಟ್ಟುಕೊಂಡ ಹಾಗಾಯಿತು. ೨೧ ಪರಲೋಕದ ಮೇಲೆ ಆಣೆಯಿಟ್ಟುಕೊಂಡರೆ ಅದರ
ಮೇಲೆಯೂ ಅದರಲ್ಲಿ ವಾಸಮಾಡುವಾತನ ಮೇಲೆಯೂ ಆಣೆಯಿಟ್ಟುಕೊಂಡ ಹಾಗಾಯಿತು.
೨೨ ಪರಲೋಕದ ಮೇಲೆ ಆಣೆಯಿಟ್ಟುಕೊಂಡರೆ ದೇವರ ಸಿಂಹಾಸನದ ಮೇಲೆಯೂ ಅದರಲ್ಲಿ
ಕೂತಿರುವಾತನ ಮೇಲೆಯೂ ಆಣೆಯಿಟ್ಟುಕೊಂಡ ಹಾಗಾಯಿತು. ೨೩ ಅಯ್ಯೋ ಕಪಟಿಗಳಾದ
ಶಾಸ್ತ್ರಿಗಳೇ ಫರಿಸಾಯರೇ ನೀವು ಮರುಗ ಸೋಪು ಜೀರಿಗೆಗಳಲ್ಲಿ ಹತ್ತರಲ್ಲೊಂದು ಪಾಲು
ಕೊಡುತ್ತೀರಿ ಸರಿ. ಆದರೆ ಧರ್ಮಶಾಸ್ತ್ರದಲ್ಲಿ ಗೌರವವಾದದ್ದನ್ನು ಅಂದರೆ ನ್ಯಾಯವನ್ನೂ
ಕರುಣೆಯನ್ನೂ ನಂಬಿಕೆಯನ್ನೂ ಬಿಟ್ಟುಬಿಟ್ಟಿರಿ. ಇವುಗಳನ್ನು ಮಾಡಬೇಕಾಗಿತ್ತು ಅವುಗಳನ್ನು
ಬಿಡಬಾರದು. ೨೪ ದಾರಿತೋರಿಸುವ ಕುರುಡರೇ ನೀವು ಸೊಳ್ಳೇ ಸೋಸುವವರು ಒಂಯೇ
ನುಂಗುವವರು.
೨೫ ಅಯ್ಯೋ ಕಪಟಿಗಳಾದ ಶಾಸ್ತ್ರಿಗಳೇ ಫರಿಸಾಯರೇ,ನೀವು ಪಂಚಪಾತ್ರೆ ಬಟ್ಟಲು ಇವುಗಳ
ಹೊರಭಾಗವನ್ನು ಶುಚಿಮಾಡುತ್ತೀರಿ. ಆದರೆ ಅವು ಒಳಗೆ ಸುಲುಕೊಂಡವುಗಳಿಗಿಂತಲೂ
ಇಹಭೋಗಪದಾರ್ಥಗಳಿದಲೂ ತುಂಬಿರುತ್ತವೆ. ೨೬ ಕುರುಡನಾದ ಫರಿಸಾಯರೇ, ಮೊದಲು
ಪಂಚಪಾತ್ರೆ ಬಟ್ಟಲುಗಳ ಒಳಭಾಗವನ್ನು ಶುಚಿಮಾಡು, ಆಗ ಅವುಗಳ ಹೊರಭಾಗವೂ
ಶುಚಿಯಾಗುವದು.
೨೭ ಅಯ್ಯೋ ಕಪಟಿಗಳಾದ ಶಾಸ್ತ್ರಿಗಳೇ ಫರಿಸಾಯರೇ ನೀವು ಸುಣ್ಣಾ ಹಚ್ಚಿದ ಸಮಾಧಿಗಳಿಗೆ
ಹೋಲಿಕೆಯಾಗಿದ್ದೀರಿ. ಇವು ಹೊರಗೆ ಚಂದವಾಗಿ ಕಾಣುತ್ತವೆ. ಒಳಗೆ ನೋಡಿದರೆ ಸತ್ತವರ
ಎಲುಬುಗಳಿಂದಲೂ ಎಲ್ಲಾ ಹೊಲಸಿನಿಂದಲೂ ತುಂಬಿರುತ್ತವೆ. ೨೮ ಹಾಗೆಯೇ ನೀವು ಸಹ
ಹೊರಗೆ ಜನರಿಗೆ ಸತ್ಪುರುಷರಂತೆ ಕಾಣಿಸಿಕೊಳ್ಳುತ್ತೀರಿ. ಸರಿ ಆದರೆ ಒಳಗೆ ಕಪಟದಿಂದಲೂ
ಅನ್ಯಾಯದಿಂದಲೂ ತುಂಬಿದವರಾಗಿದ್ದೀರಿ. ೨೯ ಅಯ್ಯೋ ಕಪಟಿಗಳಾದ ಶಾಸ್ತ್ರಿಗಳೇ
ಫರಿಸಾಯರೇ ನೀವು ಪ್ರವಾಧಿಗಳ ಸಮಾಧಿಗಳನ್ನು ಕಟ್ಟಿ ನೀತಿವಂತರ ಗೋರಿಗಳನ್ನು
ಅಲಂಕರಿಸಿ ೩೦ ನಾವು ನಮ್ಮ ಹಿರಿಯರ ಕಾಲದಲ್ಲಿ ಇರುತ್ತಿದ್ದರೆ ಪ್ರವಾದಿಗಳನ್ನು ಕೊಂದು
ಪಾಪದಲ್ಲಿ ಪಾಲುಗಾರರಾಗುತ್ತಿರಲಿಲ್ಲ. ಅನ್ನುತ್ತೀರಿ. ೩೧ ಹಾಗಾದರೆ ನೀವು ಪ್ರವಾದಿಗಳನ್ನು
ಕೊಂದವರ ಮಕ್ಕಳೇ ಹೌದು ಎಂಬದಕ್ಕೆ ನಿಮಗೆ ನೀವೇ ಸಾಕ್ಷಿಗಳಾಗಿದ್ದೀರಿ. ೩೨ ಒಳ್ಳೇದು ನೀವು
ನಿಮ್ಮ ಹಿರಿಯರ ಪಾಪದ ಅಳತೆಯನ್ನು ಪೂರ್ತಿಮಾಡಿರಿ. ೩೩ ಹಾವುಗಳೇ ಸರ್ದಜಾತಿಯವರೇ
ನರಕದಂಡನೆಗೆ ಹೇಗೆ ತಪ್ಪಿಸಿಕೊಂಡಿರಿ.? ೩೪ ಆದದರಿಂದ ನೋಡಿರಿ. ನಾನು ನಿಮ್ಮ
ಬಳಿಗೆ ಪ್ರವಾದಿಗಳನ್ನೂ ಜ್ಞಾನಿಗಳನ್ನೂ ಶಾಸ್ತ್ರಿಗಳನ್ನೂ ಕಳುಹಿಸುತ್ತೇನೆ. ಅವರಲ್ಲಿ ಕೆಲವರನ್ನು
ಕೊಲ್ಲುವಿರಿ. ಶಿಲುಬೆಗೆ ಹಾಕುವಿರಿ. ಕೆಲವರನ್ನು ನಿಮ್ಮ ಸಭಾ ಮಂದಿರಗಳಲ್ಲಿ ಕೊರಡೆಗಳಿಂದ
ಹೊಡೆದು ಊರಿಂದ ಊರಿಗೆ ಅಟ್ಟಿಕೊಂಡು ಹೋಗುವಿರಿ. ೩೫ ಹೀಗೆ ನೀತಿವಂತನಾದ
ಹೇಬೆಲನ ರಕ್ತವು ಮೊದಲುಗೊಂಡು ನೀವು ದೇವಾಲಯಕ್ಕೂ ಯಜ್ಞವೇದಿಗೂ ನಡುವೆ ಕೊಂದು
ಹಾಕಿದ ಬರಕೀಯನ ಮಗನಾದ ಜಕರೀಯನ ರಕ್ತದವರೆಗೂ ಭೂಮಿಯ ಮೇಲೆ ಸುರಿಸಲ್ಪಟ್ಟ

ಎಲ್ಲಾ ನೀತಿವಂತರ ರಕ್ತದಿಂದುಂಟಾದ ಅಪರಾಧವು ನಿಮ್ಮ ತಲೆಯ ಮೇಲೆ ಬರುವದು.
೩೬ ಅದೆಲ್ಲಾ ಈ ಸಂತತಿಯವರ ಮೇಲೆ ಬರುವದೆಂದು ನಿಮಗೆ ಸತ್ಯವಾಗಿ ಹೇಳುತ್ತೇನೆ.
೩೭ ಯೆರೂಸಲೇಮೇ, ಯೆರೂಸಲೇಮೇ ಪ್ರವಾದಿಗಳ ಪ್ರಾಣ ತೆಗೆಯುವವಳೇ, ದೇವರು
ನಿನ್ನ ಬಳಿಗೆ ಕಳುಹಿಸಿಕೊಟ್ಟವರನ್ನು ಕಲ್ಲೆಸೆದು ಕೊಲ್ಲುವವಳೇ ಕೋಳಿ ತನ್ನ ಮರಿಗಳನ್ನು
ರೆಕ್ಕೆಗಳ ಕೆಳಗೆ ಕೂಡಿಸಿಕೊಳ್ಳುವಂತೆ ನನಗೆ ಎಷ್ಟೋ ಸಾರಿ ಮನಸ್ಸಿತ್ತು ಆದರೆ ನಿಮಗೆ
ಮನಸ್ಸಿಲ್ಲದೇ ಹೋಯಿತು. ೩೮ ನೋಡಿರಿ ನಿಮ್ಮ ಆಲಯವು ನಿಮಗೆ ಬರಿದಾಗಿ ಬಿಟ್ಟದೆ.
೩೯ ಈಗಿನಿಂದ ಕರ್ತನ ಹೆಸರಿನಲ್ಲಿ ಬರುವವನಿಗೆ ಆಶೀರ್ವಾದ ಎಂದು ನೀವು ಹೇಳುವ ತನಕ
ನೀವು ನನ್ನನ್ನು ನೋಡುವದೇ ಇಲ್ಲವೆಂದು ನಿಮಗೆ ಹೇಳುತ್ತೇನೆ ಅಂದನು.

### ಯರೂಸಲೇಮಿ ನಾಶನವನ್ನೂ ಯುಗದ ಸಮಾಪ್ತಿಯನ್ನೂ ಕುರಿತು ಯೇಸು ಕಾಲಜ್ಞಾನ ಹೇಳಿದ್ದು.

(ಮಾರ್ಕ ೧೩. ೧-೩೧; ಲೂಕ ೨೧. ೫-೩೩ )

೨೪ ೧ ಆ ಮೇಲೆ ಯೇಸು ದೇವಾಲಯದಿಂದ ಹೊರಟು ಹೋಗುತ್ತಿರಲು ಆತನ ಶಿಷ್ಯರು
ಆತನಿಗೆ ದೇವಾಲಯದ ಕಟ್ಟಡಗಳನ್ನು ತೋರಿಸುವದಕ್ಕೆ ಹತ್ತಿರಕ್ಕೆ ಬಂದರು. ೨ ಆಗ
ಆತನು ಇವುಗಳನ್ನೆಲ್ಲಾ ನೋಡುತ್ತೀರಲ್ಲವೇ. ಇಲ್ಲಿ ಕಲ್ಲಿನ ಮೇಲೆ ಕಲ್ಲು ಉಳಿಯುವದಿಲ್ಲ. ಎಲ್ಲಾ
ಕೆಡವಲ್ಪಡುವದು ಎಂದು ನಿಮಗೆ ಸತ್ಯವಾಗಿ ಹೇಳುತ್ತೇನೆ ಅಂದನು.
೩ ಬಳಿಕ ಆತನು ಎಣ್ಣೆ ಮರಗಳ ಗುಡ್ಡದ ಮೇಲೆ ಕೂತಿದ್ದಾಗ ಶಿಷ್ಯರು ಆತನ ಬಳಿಗೆ
ಪ್ರತ್ಯೇಕವಾಗಿ ಬಂದು ಅದು ಯಾವಾಗ ಆಗುವದು? ನೀನು ಪ್ರತ್ಯಕ್ಷನಾಗುವದಕ್ಕೂ ಯುಗದ
ಸಮಾಪ್ತಿಗೂ ಸೂಚನೆಯೇನು? ನಮಗೆ ಹೇಳು ಅನ್ನಲು ೪ ಯೇಸು ಅವರಿಗೆ ಉತ್ತರವಾಗಿ
ಹೇಳಿದ್ದೇನಂದರೆ ಯಾರಾದರು ನಿಮ್ಮನ್ನು ಮೋಸ ಗೊಳಿಸಾರು ನೋಡಿಕೊಳ್ಳಿರಿ.
೫ ಯಾಕಂದರೆ ಅನೇಕರು ಬಂದು ನನ್ನ ಹೆಸರನ್ನು ಎತ್ತಿಕೊಂಡು – ನಾನು ಕ್ರಿಸ್ತನು, ನಾನು ಕ್ರಿಸ್ತನು
ಎಂದು ಹೇಳಿ ಎಷ್ಟೋ ಜನರನ್ನು ಮೋಸಗೊಳಿಸುವರು. ೬ ಇದಲ್ಲದೆ ಯುದ್ಧಗಳಾಗುವದನ್ನೂ
ಯುದ್ಧವಾಗುವ ಹಾಗಿದೆ ಎಂಬ ಸುದ್ದಿಗಳನ್ನೂ ನೀವು ಕೇಳಬಹುದು. ಕಳವಳಪಡದಂತೆ
ನೋಡಿಕೊಳ್ಳಿರಿ ಯಾಕಂದರೆ ಹಾಗಾಗುವದು ಅಗತ್ಯ. ಆದರೂ ಇದು ಇನ್ನೂ ಅಂತ್ಯ ಕಾಲವಲ್ಲ.
೭ ಜನಕ್ಕೆ ವಿರೋಧವಾಗಿ ಜನವೂ ರಾಜ್ಯಕ್ಕೆ ವಿರೋಧವಾಗಿ ರಾಜ್ಯವೂ ಏಳುವವು. ಮತ್ತು
ಅಲ್ಲಲ್ಲಿ ಬರಗಳು ಬರುವವು. ಭೂಕಂಪಗಳು ಆಗುವವು. ೮ ಇವೆಲ್ಲಾ ನೂತನಕಾಲವು ಹುಟ್ಟುವ
ಪ್ರಸವವೇದನೆಯ ಪ್ರಾರಂಭ. ೯ ಆಗ ನಿಮ್ಮನ್ನು ಉಪದ್ರವಕ್ಕೆ ಒಪ್ಪಿಸಿ ಕೊಲ್ಲುವರು. ನನ್ನ ಹೆಸರಿನ
ನಿಮಿತ್ತ ನಿಮ್ಮನ್ನು ಎಲ್ಲಾ ಜನಾಮಗಗಳವರು ಹಗೆ ಮಾಡುವರು. ೧೦ ಆಗ ಅನೇಕರು ಹಿಂಜರಿದು
ಒಬ್ಬರನ್ನೊಬ್ಬರು ಹಿಡುಕೊಡುವರು. ಒಬ್ಬರ ಮೇಲೊಬ್ಬರು ದ್ವೇಷ ಮಾಡುವರು. ೧೧ ಬಹು ಮಂದಿ
ಸುಳ್ಳು ಪ್ರವಾದಿಗಳು ಸಹ ಎದ್ದು ಅನೇಕರನ್ನು ಮೋಸಗೊಳಿಸುವರು. ೧೨ ಇದಲ್ಲದೆ ಅಧರ್ಮವು
ಹೆಚ್ಚಾಗುವದರಿಂದ ಬಹು ಜನರ ಪ್ರೀತಿಯು ತಣ್ಣಗಾಗಿ ಹೋಗುವದು. ೧೩ ಆದರೆ ಕಡೇವರೆಗೂ
ತಾಳುವವನು ರಕ್ಷಣೆ ಹೊಂದುವನು. ೧೪ ಇದಲ್ಲದೆ ಪರಲೋಕ ರಾಜ್ಯದ ಈ ಸುವಾರ್ತೆಯು
ಸರ್ವಲೋಕದಲ್ಲಿ ಎಲ್ಲಾ ಜನಾಂಗಗಳಿಗೆ ಸಾಕ್ಷಿಗಾಗಿ ಸಾರಲಾಗುವದು. ಆಗ ಅಂತ್ಯವು ಬರುವದು.
೧೫ ಆದದರಿಂದ ಪ್ರವಾದಿಯಾದ ದಾನೀಯೇಲನು ಹೇಳಿದಂಥ ಹಾಳುಮಾಡುವ
ಅಸಹ್ಯವಸ್ತುವು ಪವಿತ್ರ ಸ್ಥಾನದಲ್ಲಿ ನಿಂತಿರುವದನ್ನು ನೀವು ಕಾಣುವಾಗ (ಇದನ್ನು ಓದುವವನು
ತಿಳುಕೊಳ್ಳಲಿ.) ೧೬ ಯೂದಾಯದಲ್ಲಿರುವವರು ಬೆಟ್ಟಗಳಿಗೆ ಓಡಿಹೋಗಲಿ. ೧೭ ಮಾಳಿಗೆಯ
ಮೇಲೆ ಇರುವವನು ತನ್ನ ಮನೆಯೊಳಗಿರುವದನ್ನು ತೆಗೆದುಕೊಳ್ಳುವದಕ್ಕೆ ಇಳಿಯದೆ
೧೮ ಹೊಲದಲ್ಲಿರುವವನು ತನ್ನ ಹೊದಿಕೆಯನ್ನು ತೆಗೆದುಕೊಳ್ಳುವದಕ್ಕೆ ಹಿಂತಿರುಗಿ ಬಾರದೆ
ಓಡಿಹೋಗಲಿ. ೧೯ ಆ ದಿನದಲ್ಲಿ ಬಸುರಿಯರಿಗೂ ಮೊಲೆಕೂಸಿರುವ ಹೆಂಗಸರಿಗೂ ಆಗುವ
ಕಷ್ಟವನ್ನು ಏನು ಹೇಳಲಿ ೨೦ ಆಗ ಮಹಾ ಸಂಕಟ ಉಂಟಾಗುವದರಿಂದ ನಿಮ್ಮ ಪಲಾಯನವು
ಚಳಿಗಾಲದಲ್ಲಿಯಾಗಲಿ ಸಬ್ಬತದಿನದಲ್ಲಿಯಾಗಲಿ ಆಗಬಾರದೆಂದು ಪ್ರಾರ್ಥನೆ ಮಾಡಿರಿ.
೨೧ ಅಂಥ ಸಂಕಟವು ಲೋಕ ಹುಟ್ಟಿದ್ದು ಮೊದಲುಗೊಂಡು ಇಂದಿನವರೆಗೂ ಆಗಲಿಲ್ಲ.
ಇನ್ನು ಮೇಲೆಯೂ ಆಗುವದಿಲ್ಲ. ೨೨ ಕರ್ತನು ಆ ದಿನಗಳನ್ನು ಕಡಿಮೆ ಮಾಡದಿದ್ದರೆ ಒಂದು
ನರಪ್ರಾಣಿಯಾದರೂ ಉಳಿಯದು. ಆದರೆ ತಾನು ಆದುಕೊಂಡವರಿಗೋಸ್ಕರ ಆ ದಿನಗಳನ್ನು
ಕಡಿಮೆಮಾಡುವನು. ೨೩ ಆಗ ಯಾರಾದರು ನಿಮಗೆ – ಇಗೋ ಕ್ರಿಸ್ತನು ಇಲ್ಲಿದ್ದಾನೆ,ಅಗೋ
ಅಲ್ಲಿದ್ದಾನೆ ಎಂದು ಹೇಳಿದರೆ ನಂಬಬೇಡಿರಿ. ೨೪ ಸುಳ್ಳು ಕ್ರಿಸ್ತರೂ ಸುಳ್ಳು ಪ್ರವಾದಿಗಳೂ ಎದ್ದು
ಸಾಧ್ಯವಾದರೆ ದೇವರಾದುಕೊಂಡವರನ್ನು ಸಹ ಮೋಸಗೊಳಿಸುವದಕ್ಕೋಸ್ಕರ ದುಡ್ಡ ದೊಡ್ಡ

ಸೂಚಕ ಕಾರ್ಯಗಳನ್ನೂ ಅದ್ಭುತಕಾರ್ಯಗಳನ್ನೂ ಮಾಡಿ ತೋರಿಸುವರು. ೨೫ ಇಗೋ ನಿಮಗೆ
ಮೂಂದಾಗಿ ಹೇಳಿದ್ದೇನೆ. ೨೬ ಆದಕಾರಣ ಯಾರಾದರು ನಿಮಗೆ – ಅಹೋ ಕ್ರಿಸ್ತನು ಅಡವಿಯಲ್ಲಿ
ಇದ್ದಾನೆಂದು ಹೇಳಿದರೆ ಹೊರಟುಹೋಗಬೇಡಿರಿ. ಇಗೋ ಕೋಣೆಗಳಲ್ಲಿದ್ದಾನೆಂದು
ಹೇಳಿದರೆ ನಂಬಬೇಡಿರಿ. ೨೭ ಹೇಗೆ ಮಿಂಚು ಮೂಡಣದಲ್ಲಿ ಹುಟ್ಟಿ ಪಡವಣದ ವರೆಗೂ
ಕಾಣಿಸುತ್ತದೋ ಹಾಗೆಯೇ ಮನುಷ್ಯಕುನಮಾರನ ಪ್ರತ್ಯಕ್ಷತೆಯು ಇರುವದು. ೨೮ ಹೆಣ ಬಿದ್ದಲ್ಲಿ
ಹದ್ದುಗಳು ಕೂಡುವವು.

೨೯ ಆ ದಿನದಲ್ಲಿ ಸಂಕಟವು ತೀರಿದಕೂಡಲೆ ಸೂರ್ಯನು ಕತ್ತಲಾಗಿಹೋಗುವನು. ಚಂದ್ರನು
ಬೆಳಕು ಕೊಡದೆ ಇರುವನು. ನಕ್ಷತ್ರಗಳು ಆಕಾಶದಿಂದ ಉದುರುವವು. ಆಕಾಶದ ಶಕ್ತಿಗಳು
ಕದಲುವವು. ೩೦ ಆಗ ಮನುಷ್ಯಕುಮಾರನನ್ನು ಸೂಚಿಸುವ ಗುರುತು ಆಕಾಶದಲ್ಲಿ ಕಾಣಬರುವವು.
ಆಗ ಭೂಲೋಕದಲ್ಲಿರುವ ಎಲ್ಲಾ ಕುಲದವರು ಎದೆಬಡಕೊಳ್ಳುವರು. ಮತ್ತು ಮನುಷ್ಯಕುಮಾರನು
ಬಲದಿಂದಲೂ ಬಹು ಮಹಿಮೆಯಿಂದಲೂ ಆಕಾಶದ ಮೇಘಗಳ ಮೇಲೆ ಬರುವದನ್ನು ಕಾಣುವರು.
೩೧ ಮತ್ತು ಆತನು ತೂತುರಿಯ ಮಹಾ ಶಬ್ದದಿಂದ ತನ್ನ ದೂತರನ್ನು ಕಳುಹಿಸುವನು. ಅವರು
ಆತನು ಆದುಕೊಂಡವರನ್ನು ಆಕಾಶದ ಒಂದು ಕಡೆಯಿಂದ ಮತ್ತೊಂದು ಕಡೆಯ ವರೆಗೆ ನಾಲ್ಕು
ದಿಕ್ಕುಗಳಿಂದ ಒಟ್ಟುಗೂಡಿಸುವನು.

೩೨ ಅಂಜೂರದ ದೃಷ್ಟಾಂತದಿಂದ ಬುದ್ಧಿಕಲಿಯಿರಿ. ಅದರ ಕೊಂಬೆ ಇನ್ನು ಎಳೆಯದಾಗಿದ್ದು
ಎಲೆ ಬಿಡುವಾಗ ಬೇಸಿಗೆಯು ಹತ್ತಿರವಾಯಿತೆಂದು ತಿಳುಕೊಳ್ಳುತ್ತೀರಲ್ಲಾ. ೩೩ ಹಾಗೆಯೇ
ನೀವು ಸಹ ಇದನ್ನೆಲ್ಲಾ ನೋಡುವಾಗ ಆ ದಿನವು ಹತ್ತರವದೆ ಬಗಲಲ್ಲೇ ಅದೆ ಎಂದು
ತಿಳುಕೊಳ್ಳಿರಿ. ೩೪ ಇದೆಲ್ಲಾ ಆಗುವ ತನಕ ಈ ಸಂತತಿಯು ಅಳಿದುಹೋಗುವದೇ ಇಲ್ಲವೆಂದು
ನಿಮಗೆ ಸತ್ಯವಾಗಿ ಹೇಳುತ್ತೇನೆ. ೩೫ ಭೂಮ್ಯಾಕಾಶಗಳು ಅಳಿದುಹೋಗುವವು, ಆದರೆ ನನ್ನ
ಮಾತುಗಳು ಅಳಿದುಹೋಗುವದೇ ಇಲ್ಲ.

### ಮನುಷ್ಯಕುಮಾರನು ಪ್ರತ್ಯಕ್ಷನಾಗುವ ಕಾಲ ತಿಳಿಯದ ಕಾರಣ ಎಚ್ಚರವಾಗಿರಬೇಕೆಂದು ಯೇಸು ಬೋಧಿಸಿದ್ದು.

(ಮಾರ್ಕ ೧೩. ೩೨-೩೭ ; ಲೂಕ ೨೧. ೩೪- ೩೬; ೧೯. ೧೨-೨೭ )

೩೬ ಇದಲ್ಲದೆ ಆ ದಿನದ ವಿಷಯವೂ ಆ ಗಳಿಗೆಯ ವಿಷಯವೂ ನನ್ನ ತಂದೆಯೊಬ್ಬನಿಗೆ
ತಿಳಿಯುವದೇ ಹೊರತು ಮತ್ತಾರಿಗೂ ತಿಳಿಯದು. ಪರಲೋಕದಲ್ಲಿರುವ ದೂತರಿಗೂ ತಿಳಿಯದು
ಮಗನಿಗೂ ತಿಳಿಯದು ೩೭ ನೋಹನ ದಿವಸಗಳು ಹೇಗಿದ್ದವೋ ಹಾಗೆಯೇ ಮನುಷ್ಯಕುಮಾರನ
ಪ್ರತ್ಯಕ್ಷತೆಯು ಇರುವದು. ೩೮ ಹೇಗಂದರೆ ಜಲಪ್ರಳಯಕ್ಕೆ ಮುಂಚಿನ ದಿನಗಳಲ್ಲಿ ನೋಹನು
ನಾವೆಯಲ್ಲಿ ಸೇರಿದ ದಿನದ ತನಕ ಜನರು ಉಣ್ಣುತ್ತಾ ಕುಡಿಯುತ್ತಾ ಮದುವೆಮಾಡಿಕೊಳ್ಳುತ್ತಾ
ಮಾಡಿಕೊಡುತ್ತಾ ಇದ್ದು, ೩೯ ಪ್ರಳಯದ ನೀರು ಬಂದು ಎಲ್ಲರನ್ನು ಬಡಕೊಂಡು ಹೋಗುವ ತನಕ
ಏನೂ ತಿಳಿಯದೆ ಇದ್ದರಲ್ಲಾ ಅದರಂತೆ ಮನುಷ್ಯಕುಮಾರನು ಪ್ರತ್ಯಕ್ಷನಾಗುವ ಕಾಲದಲ್ಲಿಯೂ
ಇರುವದು. ೪೦ ಆವಾಗ ಇಬ್ಬರು ಹೊಲದಲ್ಲಿರುವರು. ಒಬ್ಬನು ತೆಗೆದುಕೊಳ್ಳಲ್ಪಡುವನು. ಒಬ್ಬನು
ಬಿಡಲ್ಪಡುವನು. ೪೧ ಇಬ್ಬರು ಹೆಂಗಸರು ಬೀಸುವ ಕಲ್ಲಿನ ಮುಂದೆ ಕೂತು ಬೀಸುತ್ತಿರುವರು. ಒಬ್ಬಳು
ತೆಗೆದುಕೊಳ್ಳಲ್ಪಡುವಳು ಒಬ್ಬಳು ಬಿಡಲ್ಪಡುವಳು.

೪೨ ಹೀಗಿರಲಾಗಿ ನಿಮ್ಮ ಕರ್ತನ ಬರುವ ದಿನವು ನಿಮಗೆ ಗೊತ್ತಿಲ್ಲವಾದ್ದರಿಂದ ಎಚ್ಚರವಾಗಿರ್ರಿ.
೪೩ ಕಳ್ಳನು ಬರುವ ಜಾವ ಮನೆಯ ಯಜಮಾನನಿಗೆ ತಿಳಿದಿದ್ದರೆ ಅವನು ಎಚ್ಚರವಾಗಿದ್ದು
ತನ್ನ ಮನೆಗೆ ಕನ್ನಾ ಹಾಕಗೊಡಿಸುತ್ತಿರಲಿಲ್ಲವೆಂದು ತಿಳುಕೊಳ್ಳಿರಿ. ೪೪ ಆದಕಾರಣ ನೀವು ಸಹ
ಸಿದ್ಧವಾಗಿರ್ರಿ ನಿವು ನೆನಸದ ಗಳಿಗೆಯಲ್ಲಿ ಮನುಷ್ಯಕುಮಾರನು ಬರುತ್ತಾನೆ. ೪೫ ಹಾಗಾದರೆ
ಯಜಮಾನನು ತನ್ನ ಮನೆಯವರಿಗೆ ಹೊತ್ತು ಹೊತ್ತಿಗೆ ಆಹಾರ ಕೊಡಲಿಕ್ಕೆ ಅವರ ಮೇಲಿಟ್ಟ
ನಂಬಿಗಸ್ತನೂ ವಿವೇಕಿಯೂ ಆದಂಥ ಆಳು ಯಾರು? ೪೬ ಯಜಮಾನನು ಬಂದು ಯಾವ ಆಳು
ಹೀಗೆ ಮಾಡುವದನ್ನು ಕಾಣುವನೋ ಆ ಆಳು ಧನ್ಯನು. ೪೭ ಅಂಥವನನ್ನು ಅವನು ತನ್ನ ಎಲ್ಲಾ
ಆಸ್ತಿಯ ಮೇಲೆ ನೇಮಿಸುವನು ಎಂದು ನಿಮಗೆ ನಿಜವಾಗಿ ಹೇಳುತ್ತೇನೆ. ೪೮ ಆದರೆ ಆ
ಕೆಟ್ಟ ಆಳು – ನನ್ನ ಯಜಮಾನನು ತಡ ಮಾಡುತ್ತಾನೆ ಅಂತ ತನ್ನ ಮನಸ್ಸಿನಲ್ಲಿ ಅಂದುಕೊಂಡು,
೪೯ ತನ್ನ ಜೊತೆ ಆಳುಗಳನ್ನು ಹೊಡೆಯುವದಕ್ಕೆ ತೊಡಗಿ ಕುಡಿಕರ ಸಂಗಡ ತಿನ್ನುತ್ತಾ ಕುಡಿಯುತ್ತಾ
ಇರುವದಾದರೆ ೫೦ ಅವನು ನೆನಸದ ದಿನದಲ್ಲಿಯೂ ತಿಳಿಯದ ಗಳಿಗೆಯಲ್ಲಿಯೂ ಆ ಆಳಿನ

ಯಜಮಾನನು ಬಂದು ಅವನನ್ನು ಕಠಿಣವಾಗಿ ಹೊಡಿಸಿ, ೫೧ ಕಪಟಿಗಳಿಗೆ ಆಗತಕ್ಕ ಗತಿಯನ್ನು
ಅವನಿಗೆ ನೇಮಿಸುವನು. ಅಲ್ಲಿ ಗೋಳಾಟವೂ ಕಟಕಟನೆ ಹಲ್ಲು ಕಡಿಯೋಣವೂ ಇರುವವು.

೨೫ ೧ ಆಗ ಪರಲೋಕರಾಜ್ಯವು ಆರತಿಗಳನ್ನು ತೆಗೆದುಕೊಂಡು ಮದಲಿಂಗನನ್ನು
ಎದುರುಗೊಳ್ಳುವದಕ್ಕೆ ಹೊರಟಂಥ ಹತ್ತು ಮಂದಿ ಕನ್ಯೆಯರಿಗೆ ಹೋಲಿಕೆಯಾಗಿದೆ.
೨ ಅವರಲ್ಲಿ ಐದು ಮಂದಿ ಬುದ್ಧಿಯಿಲ್ಲದವರು ಐದು ಮಂದಿ ಬುದ್ಧಿವಂತೆಯರು
೩ ಬುದ್ಧಿಯಿಲ್ಲದವರು ತಮ್ಮ ಆರತಿಗಳನ್ನು ತಕ್ಕೊಂಡರು ಆದರೆ ಎಣ್ಣೆ ತಕ್ಕೊಳ್ಳಲಿಲ್ಲ.
೪ ಬುದ್ಧಿವಂತೆಯರು ತಮ್ಮ ಆರತಿಗಳ ಕೂಡ ಪಾತ್ರೆಯಲ್ಲಿ ಎಣ್ಣೆ ತಕ್ಕೊಂಡರು. ೫ ಮದಲಿಂಗನು
ಬರುವದಕ್ಕೆ ತಡಮಾಡಲು ಅವರೆಲ್ಲರು ತೂಕಡಿಸಿ ಮಲಗಿದರು. ೬ ಆದರೆ ಅರ್ಧರಾತ್ರಿಯಲ್ಲಿ
ಇಗೋ ಮದಲಿಂಗನು ಅವನನ್ನು ಎದುರುಗೊಳ್ಳುವದಕ್ಕೆ ಹೊರಡಿರಿ ಎಂಬ ಕೂಗಾಯಿತು.
೭ ಆಗ ಆ ಕನ್ಯೆಯರೆಲ್ಲರು ಎಚ್ಚತ್ತು ತಮ್ಮ ಆರತಿಗಳನ್ನು ನೆಟ್ಟಗೆಮಾಡಿದರು. ೮ ಆಗ್ಗೆ
ಬುದ್ಧಿಯಿಲ್ಲದವರು ಬುದ್ಧಿವಂತೆಯರಿಗೆ – ನಿಮ್ಮ ಎಣ್ಣೆಯಲ್ಲಿ ನಮಗೆ ಸ್ವಲ್ಪ ಕೊಡಿರಿ.
೯ ನಮ್ಮ ಆರತಿಗಳು ಆರಿ ಹೋಗುತ್ತವೆ ಎಂದು ಹೇಳಿದರು. ಅದಕ್ಕೆ ಆ ಬುದ್ಧಿಯಿಲ್ಲದವರು
ನಿಮಗೆ ಕೊಟ್ಟರೆ ನಿಮಗೂ ನಮಗೂ ಕೂಡ ಸಾಲದೆ ಹೋದೀತು ನೀವು ಮಾರುವವರ ಬಳಿ
ಹೋಗಿ ಕೊಂಡುಕೋಂಡರೆ ಒಳ್ಳೇದು ಅಂದರು. ೧೦ ಅವರು ಕೊಂಡುಕೊಳ್ಳಲಿಕ್ಕೆ ಹೋದಾಗ
ಮದಲಿಂಗನು ಬಂದನು. ಸಿದ್ಧವಾಗಿದ್ದವರು ಅವನ ಸಂಗಡ ಮದುವೆಯ ಮನೆಯೊಳಕ್ಕೆ
ಹೋದರು. ಬಾಗಿಲು ಮುಚ್ಚಲಾಯಿತು. ೧೧ ತರುವಾಯ ಉಳಿದ ಕನ್ಯೆಯರು ಸಹ ಬಂದು ಸ್ವಾಮೀ
ಸ್ವಾಮೀ ನಮಗೂ ತೆರೆಯಿರಿ ಅಂದರು. ೧೨ ಆತನು – ನಿಮ್ಮನ್ನು ನಾನರಿಯೆನೆಂದು ನಿಮಗೆ
ಸತ್ಯವಾಗಿ ಹೇಳುತ್ತೇನೆ ಅಂದನು. ೧೩ ಆದಕಾರಣ ಆ ದಿನವಾದರೂ ಗಳಿಗೆಯಾದರೂ ನಿಮಗೆ
ಗೊತ್ತಿಲ್ಲವಾದದರಿಂದ ಎಚ್ಚರವಾಗಿರ್ರಿ.

೧೪ ದೇಶಾಂತರಕ್ಕೆ ಹೋಗುವ ಒಬ್ಬ ಮನುಷ್ಯನು ತನ್ನ ಆಳುಗಳನ್ನು ಕರೆದು ಅವರಿಗೆ ತನ್ನ
ಆಸ್ತಿಯನ್ನು ಒಪ್ಪಿಸಿಕೊಟ್ಟಂತಿರುವದು. ೧೫ ಅವನು ಒಬ್ಬನಿಗೆ ಐದು ತಲಾಂತು ಒಬ್ಬನಿಗೆ ಎರಡು
ಒಬ್ಬನಿಗೆ ಒಂದು ಹೀಗೆ ಅವನವನ ಸಾಮರ್ಥದ ಪ್ರಕಾರ ಕೊಟ್ಟು ಬೇರೊಂದು ದೇಶಕ್ಕೆ
ಹೋದನು. ೧೬ ಐದು ತಲಾಂತು ಹೊಂದಿದವನು ಹೋಗಿ ಅದನ್ನು ವ್ಯಾಪಾರಕ್ಕೆ ಹಾಕಿ ಇನ್ನೂ ಐದು
ತಲಾಂತು ಗಳಿಸಿಕೊಂಡನು. ೧೭ ಹಾಗೆಯೇ ಎರಡು ತಲಾಂತು ಹೊಂದಿದವನು ಇನ್ನೂ ಎರಡು
ಸಂಪಾದಿಸಿಕೊಂಡನು. ೧೮ ಆದರೆ ಒಂದು ತಲಾಂತು ಹೊಂದಿದವನು ಹೋಗಿ ಭೂಮಿಯನ್ನು
ಅಗಿದು ತನ್ನ ಧಣಿಯ ಹಣವನ್ನು ಬಚ್ಚಿಟ್ಟನು. ೧೯ ಬಹು ಕಾಲದ ಮೇಲೆ ಆ ಆಳುಗಳ ಧಣಿಯು ಬಂದು
ಅವರಿಂದ ಲೆಕ್ಕ ತೆಗೆದುಕೊಳ್ಳಲು, ೨೦ ಐದು ತಲಾಂತು ಹೊಂದಿದವನು ಮುಂದೆ ಬಂದು ಇನ್ನೂ
ಐದು ತಲಾಂತು ತಂದು – ಸ್ವಾಮೀ ನೀನು ಐದು ತಲಾಂತನ್ನು ನನಗೆ ಕೊಟ್ಟಿದ್ದಿಯಲ್ಲಾ ಇಗೋ ಇನ್ನು
ಐದು ತಲಾಂತು ಸಂಪಾದಿಸಿದ್ದೇನೆ. ಅಂದನು. ೨೧ ಅವನ ಧಣಿಯು ಭಲಾ ನಂಬಿಗಸ್ತನಾದ ಒಳ್ಳೇ
ಆಳು ನೀನು ಸ್ವಲ್ಪ ಕೆಲಸದಲ್ಲಿ ನಂಬಿಗಸ್ತನಾಗಿದ್ದಿ ದೊಡ್ಡ ಕೆಲಸದಲ್ಲಿ ನಿನ್ನನ್ನು ಇಡುತ್ತೇನೆ ನಿನ್ನ
ಧಣಿಯ ಸೌಭಾಗ್ಯದಲ್ಲಿ ಸೇರು ಅಂದನು. ೨೨ ಆಗ ಎರಡು ತಲಾಂತು ಹೊಂದಿದವನು ಮುಂದೆ ಬಂದು
– ಸ್ವಾಮೀ ನೀನು ಎರಡು ತಲಾಂತನ್ನು ನನಗೆ ಒಪ್ಪಿಸಿದ್ದಿಯಲ್ಲಾ ಇಗೋ ಇನ್ನು ಎರಡು ತಲಾಂತು
ಸಂಪಾದಿಸಿದ್ದೇನೆ. ಅಂದನು. ೨೩ ಅವನ ಧಣಿಯು ಅವನಿಗೆ ಭಲಾ ನಂಬಿಗಸ್ತನಾದ ಒಳ್ಳೇ ಆಳು
ನೀನು ಸ್ವಲ್ಪ ಕೆಲಸದಲ್ಲಿ ನಂಬಿಗಸ್ತನಾಗಿದ್ದಿ ದೊಡ್ಡ ಕೆಲಸದಲ್ಲಿ ನಿನ್ನನ್ನು ಇಡುತ್ತೇನೆ ನಿನ್ನ ಧಣಿಯ
ಸೌಭಾಗ್ಯದಲ್ಲಿ ಸೇರು ಎಂದು ಹೇಳಿದನು. ೨೪ ತರುವಾಯ ಒಂದು ತಲಾಂತು ಹೊಂದಿದವನು ಸಹ
ಮುಂದೆ ಬಂದು ಸ್ವಾಮೀ ನೀನು ಕಠಿಣ ಮನುಷ್ಯನು. ನೀನು ಬಿತ್ತದಿರುವಲ್ಲಿ ಕೊಯ್ಯುವವನು
ನೀನು ತೂರದಿರುವಲ್ಲಿ ರಾಶಿಮಾಡಿಕೊಳ್ಳುವವನು ಎಂದು ತಿಳಿದು, ೨೫ ಹೆದರಿಕೊಂಡು ಹೋಗಿ
ನಿನ್ನ ತಲಾಂತನ್ನು ಭೂಮಿಯಲ್ಲಿ ಬಚ್ಚಿಟ್ಟೆನು. ಇಗೋ ನಿನ್ನದು ನಿನಗೆ ಸಂದಿದೆ ಅಂದನು.
೨೬ ಆಗ ಅವನ ಧಣಿಯು ಅವನಿಗೆ ಮೈಗಳ್ಳನಾದ ಕೆಟ್ಟ ಆಳು ನೀನು ನಾನು ಬಿತ್ತದಿರುವಲ್ಲಿ
ಕೊಯ್ಯುವವನು ತೂರದಿರುವಲ್ಲಿ ರಾಶಿಮಾಡಿಕೊಳ್ಳುವವನು ಎಂದು ತಿಳಿದಿಯಾ ? ೨೭ ಹಾಗಾದರೆ
ನೀನು ನನ್ನ ಹಣವನ್ನು ಸಾಹುಕಾರನಲ್ಲಿ ಬಡ್ಡಿಗೆ ಹಾಕಬೇಕಾಗಿತ್ತು ನಾನು ಬಂದು ನನ್ನದನ್ನು
ಬಡ್ಡಿಸಹಿತ ಪಡಕೊಳ್ಳುತ್ತಿದ್ದೇನು ಎಂದು ಹೇಳಿ, ೨೮ ತನ್ನ ಸೇವಕರಿಗೆ ಅವನಿಂದ ಆ ತಲಾಂತು
ತೆಗೆದು ಹತ್ತು ತಲಾಂತು ಇದ್ದವನುಗೆ ಕೊಡಿರಿ. ೨೯ ಇದ್ದವರಿಗೆಲ್ಲಾ ಕೊಡಲ್ಪಡುವದು ಅವರಿಗೆ
ಮತ್ತೂ ಹೆಚ್ಚಾಗುವದು. ಇಲ್ಲದವನ ಕಡೆಯಿಂದ ಇದ್ದದ್ದೂ ತೆಗೆಯಲ್ಪಡುವದು. ೩೦ ಮತ್ತು ಕೆಲಸಕ್ಕೆ
ಬಾರದ ಆ ಆಲನ್ನು ಹೊಗೆ ಲತ್ತಲೆಗೆ ಹಾಕಿಬಿಡಿರಿ ಎಂದು ಹೇಳಿದನು. ಅಲ್ಲಿ ಗೋಳಾಟವೂ
ಕಟಕಟನೆ ಹಲ್ಲು ಕಡಿಯೋಣವೂ ಇರುವವು.

೩೧ ಇದಲ್ಲದೆ ಮನುಷ್ಯಕುಮಾರನು ತನಶನ ಮಹಿಮೆಯಿಂದ ಎಲ್ಲಾ ದೇವದೂತರೊಂದಿಗೆ
ಕೂಡಿ ಬರುವಾಗ ತನ್ನ ಮಹಿಮೆಯ ಸಿಂಹಾಸನದಲ್ಲಿ ಕೂತುಕೊಳ್ಳುವನು. ೩೨ ಮತ್ತು ಎಲ್ಲಾ ದೇಶಗಳ
ಜನರು ಆತನ ಮುಂದೆ ಕೂಡಿಸಲ್ಪಡುವರು. ಕುರುಬನು ಆಡುಗಳನ್ನು ಕುರಿಗಳನ್ನು ಬೇರೆ ಬೇರೆ
ಮಾಡುವ ಪ್ರಕಾರ ಆತನು ಅವರನ್ನು ಬೇರೆ ಬೇರೆ ಮಾಡಿ ೩೩ ಕುರಿಗಳನ್ನು ತನ್ನ ಬಲಗಡೆಯಲ್ಲಿ
ಆಡುಗಳನ್ನು ಎಡಗಡೆಯಲ್ಲಿ ನಿಲ್ಲಿಸುವನು. ೩೪ ಆಗ ಅರಸನು ತನ್ನ ಬಲಗಡೆಯಲ್ಲಿರುವವರಿಗೆ
– ನನ್ನ ತಂದೆಯ ಆಶೀರ್ವಾದ ಹೊಂದಿದವರೇ ಬನ್ನಿರಿ ಲೋಕಾದಿಯಿಂದ ನಿಮಗೋಸ್ಕರ
ಸಿದ್ಧಮಾಡಿದ ರಾಜ್ಯವನ್ನು ಸ್ವಾಸ್ತ್ಯವಾಗಿ ತೆಗೆದುಕೊಳ್ಳಿರಿ. ೩೫ ನಾನು ಹಸಿದಿದ್ದೆನು ನನಗೆ ಊಟಕ್ಕೆ
ಕೊಟ್ಟಿರಿ. ನಾನು ಬಾಯಾರಿದ್ದೆನು ನನಗೆ ಕುಡಿಯುವದಕ್ಕೆ ಕೊಟ್ಟಿರಿ. ಪರದೇಶಿಯಾಗಿದ್ದೆನು
ನನ್ನನ್ನು ಸೇರಿಸಿಕೊಂಡಿರಿ. ೩೬ ಬಟ್ಟೆಯಿಲ್ಲದವನಾಗಿದ್ದೆನು ನನಗೆ ಉಡುವದಕ್ಕೆ ಕೊಟ್ಟಿರಿ.
ರೋಗದಲ್ಲಿ ಬಿದ್ದಿದ್ದೆನು ನನ್ನನ್ನು ಆರೈಕೆ ಮಾಡುವದಕ್ಕೆ ಬಂದಿರಿ. ಎಂದು ಹೇಳುವೆನು.
೩೭ ಅದಕ್ಕೆ ನೀತಿವಂತರು ಸ್ವಾಮೀ ಯಾವಾಗ ನೀನು ಹಸಿದಿದ್ದೆನು ಕಂಡು ನಿನಗೆ ಊಟಕ್ಕೆ
ಕೊಟ್ಟೆವು?.ಇಲ್ಲವೆ ನೀನು ಬಾಯಾರಿದ್ದೆನ್ನುಕಂಡು ಕುಡಿಯುವದಕ್ಕೆ ಕೊಟ್ಟೆವು. ೩೮ ಯಾವಾಗ
ನೀನು ಪರದೇಶಿಯಾಗಿದ್ದೆನು ಕಂಡು ಸೇರಿಸಿಕೊಂಡೆವು. ಇಲ್ಲವೆ ನಿನಗೆ ಬಟ್ಟೆಯಿಲ್ಲದ್ದನ್ನು
ಕಂಡು ಉಡುವದಕ್ಕೆ ಕೊಟ್ಟೆವು. ೩೯ ಯಾವಾಗ ನೀನು ರೋಗದಲ್ಲಿ ಬಿದ್ದಿದ್ದನ್ನು ಅಥವಾ
ಸೆರೆಮನೆಯಲ್ಲಿ ಇದ್ದದ್ದನ್ನು ಕಂಡು ನಿನ್ನನ್ನು ನೋಡುವದಕ್ಕೆ ಬಂದೆವು ಎಂದು ಉತ್ತರವಾಗಿ
ಹೇಳುವರು. ೪೦ ಅದಕ್ಕೆ ಅರಸನು ಈ ನನ್ನ ಸಹೋದರರಲ್ಲಿ ಕೇವಲ ಅಲ್ಪನಾದವನೊಬ್ಬನಿಗೆ
ಏನೇನು ಮಾಡಿದಿರೋ ಅದನ್ನು ನನಗೂ ಮಾಡಿದ ಹಾಗಾಯಿತು ಎಂದು ನಿಮಗೆ ಸತ್ಯವಾಗಿ
ಹೇಳುತ್ತೇನೆ ಅನ್ನುವನು. ೪೧ ಆ ಮೇಲೆ ಆತನು ಎಡಗಡೆಯಲ್ಲಿರುವವರಿಗೆ –ಶಾಪಗ್ರಸ್ತರೆ
ನನ್ನನ್ನು ಬಿಟ್ಟು ಪಿಶಾಚನಿಗೂ ಅವನ ದೂತರಿಗೂ ಸಿದ್ಧಮಾಡಿರುವ ನಿತ್ಯ ಬೆಂಕಿಯೊಳಕ್ಕೆ
ಹೋಗಿರಿ. ೪೨ ನಾನು ಹಸಿದಿದ್ದೆನು ನೀವು ನನಗೆ ಊಟಕ್ಕೆ ಕೊಡಲಿಲ್ಲ. ನಾನು ಬಾಯಾರಿದ್ದೆನು
ನೀವು ನನಗೆ ಕುಡಿಯುವದಕ್ಕೆ ಕೊಡಲಿಲ್ಲ. ೪೩ ಪರದೇಶಿಯಾಗಿದ್ದೆನು ನೀವು ನನ್ನನ್ನು
ಸೇರಿಸಿಕೊಳ್ಳಲಿಲ್ಲ. ಬಟ್ಟೆಯಿಲ್ಲದವನಾಗಿದ್ದೆನು ನೀವು ನನಗೆ ಉಡುವದಕ್ಕೆ ಕೊಡಲಿಲ್ಲ.
ರೋಗದಲ್ಲಿ ಬಿದ್ದಿದ್ದೆನು ಸೆರೆಮನೆಯಲ್ಲಿದ್ದೆನು ನೀವು ನನ್ನನ್ನು ಆರೈಕೆ ಮಾಡುವದಕ್ಕೆ
ಬರಲಿಲ್ಲವೆಂದು ಹೇಳುವೆನು. ೪೪ ಅದಕ್ಕೆ ಅವರು ಸಹ ಸ್ವಾಮೀ ಯಾವಾಗ ನೀನು ಹಸಿದಿದ್ದೆನು
ನೀನು ಬಾಯಾರಿದ್ದನ್ನು ನೀನು ಪರದೇಶಿಯಾಗಿದ್ದೆನು, ಬಟ್ಟೆಯಿಲ್ಲದವನಾಗಿದ್ದದ್ದನ್ನು
ರೋಗದಲ್ಲಿ ಬಿದ್ದಿದ್ದನ್ನು ಸೆರೆಮನೆಯಲ್ಲಿದ್ದದ್ದನ್ನು ಕಂಡು ನಿನಗೆ ಉಪಚಾರ ಮಾಡದೆ ಹೋದೆವು
ಅನ್ನುವರು. ೪೫ ಆಗ ಆತನು ನೀವು ಈ ಕೇವಲ ಅಲ್ಪವಾದದವರಲ್ಲಿ ಒಬ್ಬನಿಗೆ ಏನೇನು ಮಾಡದೇ
ಹೋದಿರೋ ಅದನ್ನು ನನಗೂ ಮಾಡಿದೇ ಹೋದ ಹಾಗಾಯಿತು ಎಂದು ನಿಮಗೆ ಸತ್ಯವಾಗಿ
ಹೇಳುತ್ತೇನೆ ಅನ್ನುವನು. ೪೬ ಮತ್ತು ಇವರು ನಿತ್ಯಶಿಕ್ಷೆಗೂ ನೀತಿವಂತರು ನಿತ್ಯಜೀವಕ್ಕೂ
ಹೋಗುವರು.

### ಅಧಿಕಾರಸ್ಥರು ಯೇಸುವನ್ನು ಕೊಲ್ಲಬೇಕೆಂದು ಆಲೋಚಿಸಿದ್ದು. ಒಬ್ಬ ಸ್ತ್ರೀಯು ಬೆಲೆಯುಳ್ಳ ಪರಿಮಳ ತೈಲವನ್ನು ಆತನ ಮೇಲೆ ಹೊಯಿದದ್ದು.

(ಮಾರ್ಕ ೧೪. ೧-೧೧ ; ಲೂಕ ೨೨. ೧-೬ ; ಯೋಹಾ ೧೨.೧-೮. )

೨೬ ೧ ಯೇಸು ಈ ಮಾತುಗಳನ್ನಾಡಿ ಮುಗಿಸಿದ ಮೇಲೆ ತನ್ನ ಶಿಷ್ಯರಿಗೆ – ಎರಡು
ದಿವಸಗಳಾದ ಮೇಲೆ ಪಸ್ಕಹಬ್ಬ ಬರುತ್ತದೆಂದು ಬಲ್ಲಿರಿ. ೨ ಆಗ ಮನುಷ್ಯಕುಮಾರನನ್ನು
ಶಿಲುಬೆಗೆ ಹಾಕುವದಕ್ಕೆ ಒಪ್ಪಿಸಿ ಕೊಡೋಣವಾಗುವದು. ಎಂದು ಹೇಳಿದನು.
೩ ಆ ಕಾಲದಲ್ಲಿ ಮಹಾಯಾಜಕರೂ ಪ್ರಜೆಯ ಹಿರಿಯರೂ ಕಾಯಫನೆಂಬ ಮಹಾಯಾಜಕನ
ಮಠಕ್ಕೆ ಕೂಡಿಬಂದು, ೪ ಯೇಸುವನ್ನು ಉಪಾಯದಿಂದ ಹಿಡಿದು ಕೊಲ್ಲಬೇಕೆಂಬದಾಗಿ
ಆಲೋಚನೆಮಾಡಿಕೊಂಡರು. ೫ ಆದರೂ ಹಬ್ಬದಲ್ಲಿ ಹಿಡಿಯಬಾರದು ನಮ್ಮ ಜನರಲ್ಲಿ
ಗದ್ದಲವಾದೀತು ಎಂದು ಮಾತಾಡಿಕೊಂಡರು.
೬ ಯೇಸು ಬೇಥಾನ್ಯದಲ್ಲಿ ಕುಷ್ಠರೋಗಿಯಾದ ಸೀಮೋನನ ಮನೆಯಲ್ಲಿದ್ದಾಗ ಒಬ್ಬ ಸ್ತ್ರೀಯು,
೭ ಬಹು ಬೆಲೆಯುಳ್ಳ ಸುಗಂಧತೈಲದ ಭರಣಿಯನ್ನು ತೆಗೆದುಕೊಂಡು ಆತನ ಬಳಿಗೆ ಬಂದು
ಆತನು ಊಟಕ್ಕೆ ಕೂತಿರುವಾಗ ಆ ತೈಲವನ್ನು ಆತನ ತಲೆಯ ಮೇಲೆ ಹೊಯಿದಳು ೮ ಶಿಷ್ಯರು
ಇದನ್ನು ಕಂಡು ಕೋಪಗೊಂಡು – ಈನಷ್ಟ ಯಾತಕ್ಕೆ? ೯ ಈ ತೈಲವನ್ನು ಬಹಳ ಹಣಕ್ಕೆ ಮಾರಿ
ಬಡವರಿಗೆ ಕೊಡಬಹುದಾಗಿತ್ತಲ್ಲಾ ಅಂದರು. ೧೦ ಯೇಸು ಅದನ್ನು ತಿಳಿದು ಅವರಿಗೆ – ಈ ಸ್ತ್ರೀಗೆ

ಯಾಕೆ ತೊಂದರೆ ಕೊಡುತ್ತೀರಿ? ಈಕೆ ನನಗೆ ಒಳ್ಳೇ ಕಾರ್ಯವನ್ನು ಮಾಡಿದ್ದಾಳೆ. ೧೧ ಬಡವರು
ಯಾವಾಗಲೂ ನಿಮ್ಮ ಬಳಿಯಲ್ಲಿ ಇರುತ್ತಾರೆ. ಆದರೆ ನಾನು ನಿಮ್ಮಲ್ಲಿ ಯಾವಾಗಲೂ ಇರುವದಿಲ್ಲ.
೧೨ ಈಕೆಯು ಈ ತೈಲವನ್ನು ನನ್ನ ದೇಹದ ಮೇಲೆ ಹೊಯಿದದ್ದು ನನ್ನ ಉತ್ತರಕ್ರಿಯೆಗಾಗಿಯೇ.
೧೩ ಈ ಸುವಾರ್ತೆಯು ಸರ್ವಲೋಕದಲ್ಲಿ ಎಲ್ಲೆಲ್ಲಿ ಸಾರಲಾಗುವದೋ ಅಲ್ಲಲ್ಲಿ ಈಕೆ ಮಾಡಿದ್ದನ್ನು
ಸಹ ಈಕೆಯ ನೆನಪಿಗಾಗಿ ಹೇಳುವರೆಂದು ನಿಮಗೆ ಸತ್ಯವಾಗಿ ಹೇಳುತ್ತೇನೆ.

೧೪ ಆ ಮೇಲೆ ಹನ್ನೆರಡು ಮಂದಿ ಶಿಷ್ಯರಲ್ಲಿ ಒಬ್ಬನಾದ ಇಸ್ಕರಿಯೊತ ಯೂದನೆಂಬವನು
ಮಹಾಯಾಜಕರ ಬಳಿಗೆ ಹೋಗಿ – ೧೫ ನಾನು ಅವನನ್ನು ನಿಮಗೆ ಹಿಡುಕೊಟ್ಟರೆ ನನಗೆ
ಏನು ಕೊಡುತ್ತೀರಿ? ಅಂದನು. ಅವರು ಅವನಿಗೆ ಮೂವತ್ತು ರೂಪಾಯಿ ತೂಗಿ ಕೊಟ್ಟರು.
೧೬ ಅಂದಿನಿಂದ ಅವನು ಆತನನ್ನು ಹಿಡುಕೊಡುವದಕ್ಕೆ ಅನುಕೂಲವಾದ ಸಮಯವನ್ನು
ನೋಡುತ್ತಿದ್ದನು.

### ಯೇಸು ತನ್ನ ಶಿಷ್ಯರ ಸಂಗಡ ಕಡೇ ಭೋಜನವನ್ನು ಮಾಡಿದ್ದು.

(ಮಾರ್ಕ ೧೪. ೧೨-೩೧; ಲೂಕ ೨೨. ೭-೩೪; ಯೋಹೆ ೧೩. ೨೧-೨೬.)

೧೭ ಹುಳಿಯಿಲ್ಲದ ರೊಟ್ಟಿಯ ಹಬ್ಬದ ಮೊದಲನೆಯ ದಿವಸದಲ್ಲಿ ಶಿಷ್ಯರು ಯೇಸುವಿನ
ಬಳಿಗೆ ಬಂದು ಪಸಕದ ಊಟಮಾಡುವದಕ್ಕೆ ನಾವು ನಿನಗೆ ಎಲ್ಲಿ ಸಿದ್ಧಮಾಡಬೇಕನ್ನುತ್ತೀ ಎಂದು
ಕೇಳಲು ೧೮ ಆತನು ನೀವು ಪಟ್ಟಣದೊಳಕ್ಕೆ ಇಂಥವನ ಬಣಿಗೆ ಹೋಗಿ ಅವನಿಗೆ – ನನ್ನ
ಕಾಲ ಸಮೀಪವಾಯಿತು ನಿನ್ನ ಮನೆಯಲ್ಲಿ ನನ್ನ ಶಿಷ್ಯರ ಸಂಗಡ ಪಸ್ಕಹಬ್ಬ ಮಾಡುತ್ತೇನೆಂದು
ಬೋಧಕನು ಹೇಳುತ್ತಾನೆ ಎಂಬದಾಗಿ ಹೇಳಿರಿ ಅಂದನು. ೧೯ ಶಿಷ್ಯರು ಯೇಸು ತಮಗೆ ಅಪ್ಪಣೆ
ಕೊಟ್ಟಂತೆ ಮಾಡಿ ಪಸ್ಕಕ್ಕೆ ಸೌರಿಸಿದರು.

೨೦ ಸಂಜೆಯದಾಗ ಆತನು ಹನ್ನೆರಡು ಮಂದಿ ಶಿಷ್ಯರ ಸಂಗಡ ಊಟಕ್ಕೆ ಕೂತುಕೊಂಡನು.
೨೧ ಅವರು ಊಟಮಾಡುತ್ತಿರುವಾಗ ಆತನು – ನಿಮ್ಮಲ್ಲಿ ಒಬ್ಬನು ನನ್ನನ್ನು ಹಿಡುಕೊಡುವನೆಂದು
ನಿಮಗೆ ಸತ್ಯವಾಗಿ ಹೇಳುತ್ತೇನೆ ಅಂದನು. ೨೨ ಆಗ ಅವರು ಬಹಳ ದುಃಖಪಟ್ಟು – ಸ್ವಾಮೀ
ನಾನಲ್ಲವನ್ನ ಎಂದು ಪ್ರತಿಯೊಬ್ಬರು ಕೇಳತೊಡಗಿದರು. ೨೩ ಅದಕ್ಕಾತನು – ಬಟ್ಟಲಲ್ಲಿ ನನ್ನ
ಸಂಗಡ ಕೈ ಅದ್ದಿದವನೇ ನನ್ನನ್ನು ಹಿಡುಕೊಡುವನು ೨೪ ಮನುಷ್ಯಕುಮಾರನು ಹೊಟುಹೋಗುತ್ತಾನೆ
ಸರಿ ಹಗೆ ಆತನ ವಿಷಯವಾಗಿ ಬರೆದಿದೆಯಲ್ಲಾ. ಆದರೆ ಯಾವನು ಮನುಷ್ಯಕುಮಾರನನ್ನು
ಹಿಡುಕೊಡುವನೋ ಅವನ ಗತಿಯನ್ನು ಏನು ಹೇಳಲಿ ಆ ಮನುಷ್ಯನು ಹುಟ್ಟದಿದ್ದರೆ ಅವನಿಗೆ
ಒಳ್ಳೇದಾಗಿತ್ತು ಅಂದನು. ೨೫ ಆಗ ಆತನನ್ನು ಹಿಡುಕೊಡಬೇಕೆಂದಿದ್ದ ಯೂದನು – ಗುರುವೇ
ನಾನಲ್ಲವಲ್ಲ ಅನ್ನಲಾಗಿ ಯೇಸಯ ಅವನಿಗೆ – ನೀನೇ ಹೇಳಿದ್ದೀ ಎಂದು ಹೇಳಿದನು. ೨೬ ಅವರು
ಊಟಮಾಡುತ್ತಿರುವಾಗ ಯೇಸು ರೊಟ್ಟಿಯನ್ನು ತೆಗೆದುಕೊಂಡು ದೇವರ ಸ್ತೋತ್ರ ಮಾಡಿ
ಮುರಿದು ಶಿಷ್ಯರಿಗೆ ಕೊಟ್ಟು ತಕ್ಕೊಳ್ಳಿರಿ ತಿನ್ನಿರಿ ಇದು ನನ್ನ ದೇಹ ಅಂದನು. ೨೭ ಆ ಮೇಲೆ
ಪಾತ್ರೆಯನ್ನು ತೆಗೆದುಕೊಂಡು ಸ್ತೋತ್ರ ಮಾಡಿ ಅವರಿಗೆ ಕೊಟ್ಟು – ಇದರಲ್ಲಿರುವದನ್ನು ಎಲ್ಲರೂ
ಕುಡಿಯಿರಿ. ಇದು ನನ್ನ ರಕ್ತ. ೨೮ ಇದು ಒಡಂಬಡಿಕೆಯ ರಕ್ತ. ಇದು ಪಾಪಗಳ ಕ್ಷಮೆಗಾಗಿ ಬಹು
ಜನರಿಗೋಸ್ಕರ ಸುರಿಸಲ್ಪಡುವ ರಕ್ತ. ೨೯ ನಾನು ನನ್ನ ತಂದೆಯ ರಾಜ್ಯದಲ್ಲಿ ದ್ರಾಕ್ಷಾರಸವನ್ನು ನಿಮ್ಮ
ಸಂಗಡ ಹೊಸದಾಗಿ ಕುಡಿಯುವ ದಿನದ ವರೆಗೂ ಇನ್ನು ಕುಡಿಯುವದೇ ಇಲ್ಲ ಎಂದು ನಿಮಗೆ
ಹೇಳುತ್ತೆನೆ ಅಂದನು. ೩೦ ಬಳಿಕ ಅವರು ಕೀರ್ತನೆಯನ್ನು ಹಾಡಿ ಎಣ್ಣೆಯ ಮರಗಳ ಗುಡ್ಡಕ್ಕೆ
ಹೊರಟು ಹೋದರು.

೩೧ ಆಗ ಯೇಸು ಅವರಿಗೆ ನೀವೆಲ್ಲರೂ ಈ ರಾತ್ರಿ ನನ್ನ ವಿಷಯದಲ್ಲಿ ದಿಗಿಲುಪಟ್ಟು
ಹಿಂಜರಿಯುವಿರಿ. ಕುರುಬನನ್ನು ಹೊಡೆಯುವೆನು ಹಿಂಡಿನ ಕುರಿಗಳು ಚದರಿಹೋಗುವವು.
ಎಂದು ಬರೆದಿದೆಯಲ್ಲಾ. ೩೨ ಆದರೆ ನಾನು ಜೀವಿತನಾಗಿ ಎದ್ದ ಮೇಲೆ ನಿಮ್ಮ ಮುಂದೆ
ಗಲಿಲಾಯಕ್ಕೆ ಹೋಗುವೆನು. ಎಂದು ಹೇಳಿದನು. ೩೩ ಪೇತ್ರನು ಆತನಿಗೆ – ಎಲ್ಲರೂ
ನಿನ್ನ ವಿಷಯದಲ್ಲಿ ದಿಗಿಲುಪಟ್ಟು ಹಿಂಜರಿದರೂ ನಾನು ಎಂದಿಗೂ ಹಿಂಜರಿಯುವದಿಲ್ಲ
ಎಂದು ಉತ್ತರ ಕೊಡಲು, ೩೪ ಯೇಸು ನಿನಗೆ ಸತ್ಯವಾಗಿ ಹೇಳುತ್ತೇನೆ ಇದೇ ರಾತ್ರಿಯಲ್ಲಿ
ಕೋಳಿಕೂಗುವದಕ್ಕಿಂತ ಮುಂಚೆ ನೀನು ನನ್ನ ವಿಷಯದಲ್ಲಿ ಅವನನ್ನು ಅರಿಯೆನೆಂಬದಾಗಿ
ಮೂರು ಸಾರಿ ಹೇಳಯವಿ ಅಂದನು. ೩೫ ಪೇತ್ರನು ಆತನಿಗೆ – ನಾನು ನಿನ್ನ ಸಂಗಡ
ಸಾಯಬೇಕಾದರೂ ನಿನ್ನನ್ನು ಅರಿಯೆನೆಂಬದಾಗಿ ಹೇಳುವದೇ ಇಲ್ಲ ಎಂದು ಹೇಳಿದನು.
ಅದರಂತೆ ಶಿಷ್ಯರೆಲ್ಲರೂ ಹೇಳಿದರು.

## ಯೇಸು ಗೆತ್ಸೇಮನೆ ತೋಟದಲ್ಲಿ ಪ್ರಾರ್ಥಿಸುವಾಗ ಯೂದನು ಆತನನ್ನು ಶತ್ರುಗಳಿಗೆ ಹಿಡುಕೊಟ್ಟದ್ದು

(ಮಾರ್ಕ ೧೪. ೩೨-೫೦ ; ಲೂಕ ೨೨. ೪೦- ೫೩; ಯೋಹನೆ ೧೮. ೧-೧೨)

೩೬ ಅನಂತರ ಯೇಸು ತನ್ನ ಶಿಷ್ಯರ ಸಂಗಡ ಗೆತ್ಸೇಮನೆ ಎಂಬ ತೋಟಕ್ಕೆ ಬಂದು ಅವರಿಗೆ
– ಇಲ್ಲೇ ಕೂತುಕೊಳ್ಳಿರಿ ನಾನು ಅತ್ತಲಾಗಿ ಹೋಗಿ ಪ್ರಾರ್ಥನೆ ಮಾಡಿ ಬರುತ್ತೇನೆ ಎಂದು
ಹೇಳಿ , ೩೭ ಪೇತ್ರನನ್ನು ಜೆಬೆದಾಯವ ಇಬ್ಬರು ಮಕ್ಕಳನ್ನು ಕರಕೊಂಡು ಹೋಗಿ ದುಃಖಪಟ್ಟು
ಮನಗುಂದಿದವನಾದನು. ೩೮ ಮತ್ತು ಅವರಿಗೆ ನನ್ನ ಪ್ರಾನವು ಸಾಯುವಷ್ಟು ದುಃಖಕ್ಕೆ ಒಳಗೆಗಿದೆ.
ನೀವು ಇಲಚಲೇ ಇದ್ದು ನನ್ನ ಸಂಗಡ ಎಚ್ಚರವಾಗಿರ್ರಿ ಎಂದು ಹೇಳಿ, ೩೯ ಸ್ವಲ್ಪ ಮುಂದೆ ಹೋಗಿ
ಬೋರಲ ಬಿದ್ದು – ನನ್ನ ತಂದೆಯೇ ಸಾಧ್ಯವಾಗಿದ್ದರೆ ಈ ಪಾತ್ರೆಯು ನನ್ನನ್ನು ಬಿಟ್ಟುಹೋಗಲಿ,
ಹೇಗೂ ನನ್ನ ಚಿತ್ತದಂತಾಗದೆ ನಿನ್ನ ಚಿತ್ತದಂತೆಯೇ ಆಗಲಿ ಎಂದು ದೇವರನ್ನು ಪ್ರಾರ್ಥಿಸಿದನು.
೪೦ ಆ ಮೇಲೆ ಆ ಶಿಷ್ಯರ ಬಳಿಗೆ ಬಂದು ನಿದ್ದೆಮಾಡುವದನ್ನು ಕಂಡು ಪೇತ್ರನಿಗೆ ಹೇಗೋ?
ಒಂದು ಗಳಿಗೆಯಾದರೂ ನನ್ನ ಸಂಗಡ ಎಚ್ಚರವಾಗಿರಲಾರಿರಾ? ೪೧ ಶೋಧನೆಗೆ ಒಳಗಾಗದಂತೆ
ಎಚ್ಚರವಾಗಿದ್ದು ಪ್ರಾರ್ಥಿಸಿರಿ. ಮನಸ್ಸು ಸಿದ್ಧವಾಗಿದೆ ಸರಿ. ಆದರೆ ದೇಃಕ್ಕೆ ಬಲ ಸಾಲದು
ಎಂದು ಹೇಳಿದನು. ೪೨ ತಿರಿಗಿ ಎರಡನೇ ಸಾರಿ ಹೋಗಿ – ನನ್ನ ತಂದೆಯೇ ನಾನು ಕುಡಿದ
ಹೊರತು ಈ ಪಾತ್ರೆ ಬಿಟ್ಟುಹೋಗಕೂಡದಾಗಿದ್ದರೆ ನಿನ್ನ ಚಿತ್ತವೇ ಆಗಲಿ ಎಂದು ದೇವರನ್ನು
ಪ್ರಾರ್ಥಿಸಿದನು. ೪೩ ಆತನು ತಿರಿಗಿ ಬಂದಾಗ ಅವರು ನಿದ್ದೆಮಾಡುವದನ್ನು ಕಂಡನು. ಅವರ
ಕಣ್ಣುಗಳು ಭಾರವಾಗಿದ್ದವು. ೪೪ ಆ ಮೇಲೆ ತಿರಿಗಿ ಅವರನ್ನು ಬಿಟ್ಟುಹೋಗಿ ತಿರಿಗಿ ಅದೇ
ಮಾತನ್ನು ಹೇಳುತ್ತಾ ಮೂರನೇಯ ಸಾರಿ ಪ್ರಾರ್ಥಿಸಿದನು. ೪೫ ತರುವಾಯ ಶಿಷ್ಯರ ಬಳಿಗೆ ಬಂದು
ಅವರಿಗೆ- ನೀವು ಇನ್ನು ನಿದ್ದೆ ಮಾಡಿ ಧಣುವಾರಿಸಿಕೊಳ್ಳಿರಿ.ಇಗೋ ಗಳಿಗೆ ಸಮೀಪಿಸಿತು.
ಈಗ ಮನುಷ್ಯಕುಮಾರನು ದುರ್ಜನರ ಕೈಗೆ ಒಪ್ಪಿಸಲ್ಪಡುವನು. ೪೬ ಏಳಿರಿ ಹೋಗೋಣ. ನನ್ನನ್ನು
ಹಿಡುಕೊಡುವವನು ಹತ್ತಿರಕ್ಕೆ ಬಂದಿದ್ದಾನೆ ನೋಡಿರಿ ಎಂದು ಹೇಳಿದನು.

೪೭ ಆತನು ಇನ್ನೂ ಮಾತಾಡುತ್ತಿರಲು ಇಗೋ ಹನ್ನೆರಡು ಮಂದಿ ಶಿಷ್ಯರಲ್ಲಿ ಒಬ್ಬನಾದ ಯೂದನು
ಬಂದನು. ಮಹಾಯಾಜಕರು ಜನರ ಹಿರಿಯರು ಇವರ ಕಡೆಯಿಂದ ಬಹು ಜನರ ಗುಂಪು ಕತ್ತಿ
ದೊಣ್ಣೆಗಳನ್ನು ಹಿಡುಕೊಂಡು ಅವನ ಸಂಗಡ ಬಂತು. ೪೮ ಇದಲ್ಲದೆ ಆತನನ್ನು ಹಿಡುಕೊಡುವವನು
ಅವರಿಗೆ – ನಾನು ಯಾರಿಗೆ ಯಾರಿಗೆ ಮುದ್ದಿಡುತ್ತೇನೋ ಅವನೇ ಆತನು. ಅವನನ್ನು
ಹಿಡಿಯಿರಿ ಎಂದು ಗುರುತು ಹೇಳಿಕೊಟ್ಟನು. ೪೯ ಕೂಡಲೇ ಅವನು ಯೇಸುವಿನ ಬಳಿಗೆ
ಹೋಗಿ – ಗುರುವೇ ನಮಸ್ಕಾರ ಎಂದು ಹೇಳಿ ಆತನಿಗೆ ಮುದ್ದಿಟ್ಟನು. ೫೦ ಯೇಸು ಅವನಿಗೆ
ಗೆಳೆಯನೇ ನೀನು ಬಂದ ಕೆಲಸ ಇದೇಯಕೋ? ಎಂದು ಹೇಳಲು ಅವರು ಹತ್ತಿರಕ್ಕೆ ಬಂದು
ಯೇಸುವಿನ ಮೇಲೆ ಕೈಹಾಕಿ ಆತನನ್ನು ಹಿಡಿದರು. ೫೧ ಹಿಡಿಯುತ್ತಲೇ ಯೇಸುವಿನ ಸಂಗಡ
ಇದ್ದವರಲ್ಲಿ ಒಬ್ಬನು ಕೈಚಾಚಿ ಕತ್ತಿಯನ್ನು ಹಿರಿದು ಮಹೆಯಾಜಕನ ಆಳನ್ನು ಹೊಡೆದು ಅವನ
ಕಿವಿಯನ್ನು ಕಡಿದು ಹಾಕಿದನು. ೫೨ ಆಗ ಯೇಸು ಅವನಿಗೆ – ನಿನ್ನ ಕತ್ತಿಯನ್ನು ತಿರುಗಿ
ಒರೆಯಲ್ಲಿ ಸೇರಿಸು. ಕತ್ತಿಯನ್ನು ಹಿಡಿದವರೆಲ್ಲರೂ ಕತ್ತಿಯಿಂದ ಸಾಯುವರು. ೫೩ ನಾನು ನನ್ನ
ತಂದೆಯನ್ನು ಬೇಡಿಕೊಳ್ಳಲಾರೆನೆಂದೂ ಬೇಡಿಕೊಂಡರೆ ಆತನು ನನಗೆ ಈಗಲೇ ಹನ್ನೆರಡು
ಗಣಗಳಿಗಿಂತ ಹೆಚ್ಚು ಮಂದಿ ದೇವದೂತರನ್ನು ಕಳುಹಿಸಿಕೊಡುವದಿಲ್ಲವೆಂದು ನೆನಸುತ್ತೀಯಾ?
೫೪ ಕಳುಹಿಸಿಕೊಟ್ಟರೆ ನನಗೆ ಇಂಥಿಂಥದು ಆಗಬೇಕೆಂಬುವ ಶಾಸ್ತ್ರದ ಮಾತುಗಳು ನೆರವೇರುವದು
ಹೇಗೆ ಎಂದು ಹೇಳಿದನು. ೫೫ ಅದೇ ಗಳಿಗೆಯಲ್ಲಿ ಯೇಸು ಗುಂಪು ಗುಂಪಾಗಿ ಕೂಡಿದ್ದ ಜನರಿಗೆ
– ಕಳ್ಳನನ್ನು ಹಿಡಿಯುವದಕ್ಕೆ ಬಂದಂತೆ ಕತ್ತಿಗಳನ್ನು ದೊಣ್ಣೆಗಳನ್ನು ತೆಗೆದುಕೊಂಡು ನನ್ನನ್ನು
ಹಿಡಿಯುವದಕ್ಕೆ ಬಂದಿರಾ? ನಾನು ದಿನಾಲು ದೇವಾಲಯದಲ್ಲಿ ಕೂತುಕೊಂಡು ಬೋಧಿಸುತ್ತಿದ್ದಾಗ
ನೀವು ನನ್ನನ್ನು ಹಿಡಿಯಲಿಲ್ಲ. ೫೬ ಆದರೆ ಪ್ರವಾದಿಗಳು ಬರೆದ ವಚನಗಳು ನೆರವೇರುವಂತೆ
ಇದೆಲ್ಲಾ ಆಯಿತು ಎಂದು ಹೇಳಿದನು. ಆಗ ಶಿಷ್ಯರೆಲ್ಲರೂ ಆತನನ್ನು ಬಿಟ್ಟು ಓಡಿಹೋದರು.

ಹಿರೀ ಸಭೆಯವರು ಯೇಸುವನ್ನು ಮರಣದಂಡನೆಗೆ ತಕ್ಕವನೆಂದು ಪಿಲಾತನು ಪಿಲಾತನ ಬಳಿಗೆ ತೆಗೆದುಕೊಂಡು ಹೋದದ್ದು. ಅಷ್ಟರಲ್ಲಿ ಪೇತ್ರನು ಅವನನ್ನು ಅರಿಯೆನೆಂದು ಹೇಳಿದ್ದು.

(ಮಾರ್ಕ ೫೫-೭೨; ಲೂಕ ೨೨. ೫೪-೭೧; ಯೋಹಾ ೧೮. ೧೨-೨೭.)

[೫೭] ಯೇಸುವನ್ನು ಹಿಡಿದವರು ಆತನನ್ನು ಮಹಾಯಾಜಕನಾದ ಕಾಯಫನ ಬಳಿಗೆ
ತೆಗೆದುಕೊಂಡು ಹೋದರು. [೫೮] ಅಲ್ಲಿ ಶಾಸ್ತ್ರಿಗಳು ಹಿರಿಯರೂ ಕೂಡಿಬಂದಿದ್ದರು. ಪೇತ್ರನಾದರೂ
ದೂರದಿಂದ ಆತನ ಹಿಂದೆ ಹೋಗುತ್ತಾ ಮಹಾಯಾಜಕನ ಮಠದ ಅಂಗಳದ ತನಕ ಬಂದು
ಒಳಗೆ ಹೊಕ್ಕು ಆತನ ಗತಿ ಏನಾಗುವದೋ ಎಂದು ನೋಡಬೇಕೆಂದು ಓಲೇಕಾರರ ಸಂಗಡ
ಕೂತುಕೊಂಡನು. [೫೯] ಆಗ ಮಹಾಯಾಜಕರೂ ಹಿರಿಯಸಭೆಯವರೆಲ್ಲರೂ ಯೇಸುವನ್ನು
ಕೊಲ್ಲಿಸಬೇಕೆಂದು ಆತನ ಮೇಲೆ ಸುಳ್ಳುಸಾಕ್ಷಿಯನ್ನು ಹುಡುಕಿದರು. ಆದರೆ ಬಹು ಮಂದಿ
ಸುಳ್ಳುಸಾಕ್ಷಿಗಳು ಬಂದು ನಿಂತರೂ ಏನೂ ಸಿಕ್ಕಲಿಲ್ಲ. [೬೦] ಕಡೆಗೆ ಇಬ್ಬರು ಮುಂದೆ ಬಂದು – [೬೧] ನಾನು
ದೇವರ ಆಲಯವನ್ನು ಕೆಡವಿಬಿಟ್ಟು ಮೂರು ದಿನಗಳಲ್ಲಿ ಕಟ್ಟಬಲ್ಲೆನೆಂದು ಇವನು ಹೇಳಿದನು
ಅಂದರು. [೬೨] ಆಗ ಮಹಾಯಾಜಕರು ಎದ್ದು ನಿಂತು ನೀನೇನೂ ಉತ್ತರಹೇಳುವುದಿಲ್ಲವೋ? ಇವರು
ನಿನ್ನ ಮೇಲೆ ಹೇಳುವ ಸಾಕ್ಷಿ ಏನು ಎಂದು ಆತನನ್ನು ಕೇಳಿದರು. ಆಗ ಯೇಸು ಸುಮ್ಮನಿದ್ದನು.
[೬೩] ಆಗ ಮಾಹಾಯಾಜಕರು- ನಿನಗೆ ಜೀವಸ್ವರೂಪನಾದ ದೇವರ ಆಣೆಯನ್ನು ಇಡುತ್ತೇನೆ. ನೀನು
ದೇವಕುಮಾರನಾದ ಕ್ರಿಸ್ತನು ಹೌದು ಅಲ್ಲವೋ ಎಂಬದನ್ನು ನಮಗೆ ಹೇಳಬೇಕು ಎಂದು ಅನ್ನಲಾಗಿ,
[೬೪] ಯೇಸು – ನೀನೇ ಹೇಳಿದ್ದೀ; ಇದಲ್ಲದೆ ಇನ್ನು ಮೇಲೆ ಮನುಷ್ಯಕುಮಾರನು ಸರ್ವಶಕ್ತನ
ಬಲಗಡೆಯಲ್ಲಿ ಆಸೀನಾಗಿರುವದನ್ನೂ ಆಕಾಶದ ಮೇಘಗಳ ಮೇಲೆ ಕುಳಿತು ಬರುವದನ್ನೂ
ಕಾಣುವಿರಿ ಎಂದು ನಿಮಗೆ ಹೇಳುತ್ತೇನೆ ಅಂದನು. [೬೫] ಆಗ ಮಹಾಯಾಜಕರು ತಮ್ಮ ಬಟ್ಟೆಗಳನ್ನು
ಹರಕೊಂಡು ಇದು ದೇವದೂಷಣೆಯ ಮಾತು. ನಮಗೆ ಸಾಕ್ಷಿಗಳು ಇನ್ನು ಯಾತಕ್ಕೆ ಬೇಕು? ಇವನು
ಈಗಲೇ ಆಡಿದ ದೂಷಣೆಯ ಮಾತನ್ನು ಕೇಳಿದ್ದಿರಲ್ಲಾ. [೬೬] ನಿಮಗೆ ಹೇಗೆ ತೋರುತ್ತದೆ? ಅನ್ನಲು
ಇವನು ಮರಣದಂಡನೆಗೆ ಹೊಂದತಕ್ಕವನು ಎಂದು ಉತ್ತರಕೊಟ್ಟರು. [೬೭] ಆಗ ಆತನ ಮುಖದ
ಮೇಲೆ ಉಗುಳಿ ಆತನನ್ನು ಗುದ್ದಿದರು. ಕೆಲವರು ಆತನ ಕೆನ್ನೆಗೆ ಏಟುಹಾಕಿ – [೬೮] ಕ್ರಿಸ್ತನೇ
ನಿನ್ನನ್ನು ಹೊಡೆದವರಾರು? ನಮಗೆ ಪ್ರವಾದನೆ ಹೇಳು ಅಂದರು.
[೬೯] ಇಲ್ಲಾಗಿ ಪೇತ್ರನು ಹೊರಗೆ ಅಂಗಳದಲ್ಲಿ ಕೂತಿದ್ದನು. ಅಲ್ಲಿ ಒಬ್ಬ ದಾಸಿಯು ಅವನ ಬಳಿಗೆ
ಬಂದು – ನೀನು ಸಹ ಗಲಿಲಾಯದ ಯೇಸುವಿನ ಕೂಡ ಇದ್ದವನು ಅನ್ನಲು [೭೦] ಅವನು – ಅಲ್ಲ,
ನೀನು ಏನನ್ನುತ್ತೀಯತೋ ನನಗೆ ಗೊತ್ತಿಲ್ಲ ಎಂದು ಎಲ್ಲರ ಮುಂದೆ ಹೇಳಿದನು. [೭೧] ಅವನು
ಅಲ್ಲಿಂದ ಬಾಗಲಿನ ಕಡೆಗೆ ಹೊರಟುಹೋದಾಗ ಮತ್ತೊಬ್ಬಳು ಅವನನ್ನು ಕಂಡು ಅಲ್ಲಿರುವವರಿಗೆ-
ಇವನೂ ನಜರೇತಿನ ಯೇಸುವಿನ ಕೂಡ ಇದ್ದವನು ಎಂದು ಹೇಳಿದಳು. [೭೨] ಅವನು ತಿರುಗಿ
ಅಲ್ಲ –ಆ ಮನುಷ್ಯನನ್ನು ನಾನರಿಯೆನು ಎಂದು ಆಣೆಯಿಟ್ಟುಕೊಂಡು ಹೇಳಿದನು. [೭೩] ಸ್ವಲ್ಪ
ಹೊತ್ತಿನ ಮೇಲೆ ಅಲ್ಲಿ ನಿಂತವರು ಮುಂದೆ ಬಂದು ಪೇತ್ರನಿಗೆ –ನಿಶ್ಚಯವಾಗಿ ನೀನೂ ಸಹ
ಅವರಲ್ಲಿ ಒಬ್ಬನು, ನಿನ್ನ ಬಾಷೆಯೇ ನಿನ್ನನ್ನು ಗಲಿಲಾಯದವನೆಂದು ತೋರಿಸಿಕೊಡುತ್ತದೆ ಎಂದು
ಹೇಳಲಾಗಿ, [೭೪] ಅವನು – ಆ ಮನುಷ್ಯನನ್ನು ನನರಿಯೆನು ಎಂದು ಹೇಳಿ ಶಾಪಹಾಕಿಕೊಳ್ಳುವದಕ್ಕೆ
ಪ್ರಾರಂಭಿಸಿದನು.ಕೂಡಲೇ ಕೋಳಿ ಕೂಗಿತು. [೭೫] ಆಗ ಪೇತ್ರನು ಕೋಳಿಕೂಗುವದಕ್ಕಿಂತ ಮುಂಚೆ
ಮೂರು ಸಾರಿ ನನ್ನ ವಿಷಯವಾಗಿ ಅವನನ್ನು ಅರಿಯೆನೆಂಬದಾಗಿ ಹೇಳುವಿ ಎಂದು ಯೇಸು
ಹೇಳಿದ ಮಾತನ್ನು ನೆನಸಿ ಹೊರಗೆ ಹೋಗಿ ಬಹು ವ್ಯಥೆಪಟ್ಟು ಅತ್ತನು.

೨೭ [೧] ಬೆಳಗಾಗಲು ಎಲ್ಲಾ ಮಹಾಯಜಕರು ಜನರ ಹಿರಿಯರು ಯೇಸುವನ್ನು
ಕೊಲ್ಲಿಸಬೇಕೆಂದು ಆಲೋಚನೆಮಾಡಿಕೊಂಡು [೨] ಆತನನ್ನು ಕಟ್ಟಿಸಿ ತೆಗೆದುಕೊಂಡು
ಹೋಗಿ ದೇಶಾಧಿಪತಿಯಾದ ಪಿಲಾತನಿಗೆ ಒಪ್ಪಿಸಿದರು.

ಯೂದನು ಪಶ್ಚಾತ್ತಾಪಪಟ್ಟು ಆತ್ಮಹತ್ಯ ಮಾಡಿಕೊಂಡನು.

[೩] ಆಗ ಅತನನ್ನು ಹಿಡುಕೊಟ್ಟ ಯೂದನು ಆತನಿಗೆ ಮರಣದಂಡನೆಯ ತೀರ್ಪಾಯಿತೆಂದು
ನೋಡಿ ಪಶ್ಚಾತ್ತಾಪಪಟ್ಟು ಆ ಮೂವತ್ತು ರೂಪಾಯಿಗಳನ್ನು ಮಹಾಯಾಜಕರಿಗೂ ಹಿರಿಯರಿಗೂ
ತಿರಿಗಿ ತಂದು, [೪] ತಪ್ಪಿಲ್ಲದವಣ್ನು ಮರಣಕ್ಕೆ ಒಪ್ಪಿಸಿಕೊಟ್ಟು ಪಾಪ ಮಾಡಿದೆನು ಅಂದನು.
ಅದಕ್ಕವರು – ಅದು ನಮಗೇನು? ನೀನೇ ನೋಡಿಕೋ ಅಂದರು. [೫] ಆಗ ಅವನು ಆ ಹಣವನ್ನು
ಬಿಸಾಟುಬಿಟ್ಟು ಹೊರಟುಹೋಗಿ ಉರ್ಲು ಹಾಕಿಕೊಂಡು ಸತ್ತನು. [೬] ಮಹಾಯಾಜಕರು ಆ

ಹಣವನ್ನು ತೆಗೆದುಕೊಂಡು ಅದು ಜೀವಹತ್ಯಕ್ಕೆ ಕೊಟ್ಟ ಕ್ರಯವಾದ್ದರಿಂದ ಅದನ್ನು ಕಾಣಿಕೆ
ಪೆಟ್ಟಿಯಲ್ಲಿ ಹಾಕಬಾರದು ಅಂದರು. ೭ ಬಳಿಕ ಆಲೋಚನೆ ಮಾಡಿ ಪರದೇಶಿಗಳನ್ನು
ಹೂಣಿಡುವದಕ್ಕೋಸ್ಕರ ಅದರಿಂದ ಕುಂಬಾರನ ಹೊಲವೆಂಬ ಭೂಮಿಯನ್ನು ಕೊಂಡುಕೊಂಡರು.
೮ ಈ ಕಾರಣದಿಂದ ಇಂದಿನವರೆಗೂ ಆ ಹೊಲಕ್ಕೆ ಜೀವಹತ್ಯದ ಹೊಲವೆಂಬ ಹೆಸರು ಅದೆ.
೯ ಹೀಗೆ ಪಸರವಾಧಿಯಾದ ಯೆರಮೀಯನು ಹೇಳಿದ ಮಾತು ನೆರವೇರಿತು. ಅದೇನಂದರೆ
, - ಅವರು ಆ ಮೂವತ್ತು ರೂಪಾಯಿ ತೆಗೆದುಕೊಂಡು, ೧೦ ಕರ್ತನು ನನಗೆ ಅಪ್ಪಣೆಮಾಡಿದಂತೆ
ಅದನ್ನು ಕುಂಭಾರನ ಹೊಲಕ್ಕೆ ಕೊಟ್ಟರು. ಇದೇ ಅವರು ಕ್ರಯಕಟ್ಟಿದವನ ಬೆಲೆ. ಇದೇ
ಇಸ್ರಾಯೆಲ್ಯರಲ್ಲಿ ಕೆಲವರು ಕ್ರಯಕಟ್ಟಿದವನ ಬೆಲೆ ಎಂಬದೇ

## ಪಿಲಾತನು ಯೇಸುವನ್ನು ಮರಣದಂಡನೆಗೆ ಒಪ್ಪಿಸಿದ್ದು.

(ಮಾರ್ಕ ೧೫. ೨-೧೫; ಲೂಕ೨೩. ೨,೩, ೧೩-೨೫; ಯೋಹಾ ೧೮. ೨೯-೪೦; ೧೯. ೧೬)

೧೧ ಯೇಸು ಶತಾಧಿಪತಿಯ ಮುಂದೆ ನಿಂತಿರುವಾಗ ದೇಶಾಧಿಪತಿಯು ಆತನನ್ನು – ನೀನು
ಯೆಹೂದ್ಯರ ಅರಸನು ಹೌದೋ ಎಂದು ಕೇಳಿದನು. ಯೇಸು ನೀನೇ ಹೇಳಿದ್ದೀ ಅಂದನು.
೧೨ ಮತ್ತು ಮಹಾಯಾಜಕರೂ ಹಿರಿಯರು ಆತನ ಮೇಲೆ ದೂರುಹೇಳುತ್ತಿರುವಾಗ ಆತನು ಏನೂ
ಉತ್ತರ ಕೊಡಲಿಲ್ಲ. ೧೩ ಆಗ ಪಿಲಾತನು ಆತನನ್ನು – ಇವರು ನಿನ್ನ ಮೇಲೆ ಎಷ್ಟು ಸಾಕ್ಷಿ ಹೇಳುತ್ತಾರೆ
ನೀನು ಕೇಳುವುದಿಲ್ಲವೋ? ಎಂದು ಕೇಳಿದನು. ೧೪ ಆತನು ಅವನಿಗೆ ಒಂದು ಮಾತಿಗಾದರೂ
ಉತ್ತರಕೊಡಲಿಲ್ಲ. ಅದನ್ನು ನೋಡಿ ದೇಶಾಧಿಪತಿಯು ಬಹಳ ಆಶ್ಚರ್ಯಪಟ್ಟನು. ೧೫ ಆದರೆ ಆ
ಹಬ್ಬದಲ್ಲಿ ಜನರು ಅಪೇಕ್ಷಿಸುವ ಸೆರೆಯವನನ್ನು ಅವರಿಗೆ ಬಿಟ್ಟುಕೊಡುವದು ದೇಶಾಧಿಪತಿಯ
ಪದ್ಧತಿಯಾಗಿತ್ತು. ೧೬ ಆಕಾಲದಲ್ಲಿ ಬರಬ್ಬನೆಂಬ ಪ್ರಸಿದ್ಧವಾದ ಒಬ್ಬ ಸೆರೆಯವನು ಸಿಕ್ಕಿಬಿದ್ದನು.
೧೭-೧೮ ಹೀಗಿರಲಾಗಿ ಅವರು ಕೂಡಿಬಂದ ಸಮಯದಲ್ಲಿ ಪಿಲಾತನು ಹೊಟ್ಟೆಕಿಚ್ಚಿನಿಂದ
ಆತನನ್ನು ಒಪ್ಪಿಸಿಕೊಟ್ಟಿದ್ದರೆಂದು ತಿಳಿದು – ನಿಮಗೆ ಯಾರನ್ನು ಬಿಟ್ಟುಕೊಡಬೇಕೆನ್ನುತ್ತೀರಿ?
ಬರಬ್ಬನನ್ನೋ? ಕ್ರಿಸ್ತನನ್ನಿಸಿಕೊಳ್ಳುವ ಯೇಸುವನ್ನೋ ಎಂದು ಅವರನ್ನು ಕೇಳಿದನು. ೧೯ ಇದಲ್ಲದೆ
ಅವನು ನ್ಯಾಯಾಸನದಲ್ಲಿ ಕೂತಿರುವಾಗ ಅವನ ಹೆಂಡತಿಯು – ನೀನು ಆ ಸತ್ಪುರುಷನ ಗೊಡವೆಗೆ
ಹೋಗಬೇಡ. ಅವನ ದೆಸೆಯಿಂದ ಈ ಹೊತ್ತು ಕನಸಿನಲ್ಲಿ ಬಹಳ ತೊಂದರೆ ಪಟ್ಟೆನು ಎಂದು
ಅವನ ಬಳಿಗೆ ಹೇಳಿಕಳುಹಿಸಿದಳು ೨೦ ಅತ್ತಲಾಗಿ ಮಹಾಯಾಜಕರೂ ಹಿರಿಯರೂ ಬರಬ್ಬನನ್ನು
ಬಿಟ್ಟುಕೊಡಬೇಕೆಂದು ಬೇಡಿಕೊಳ್ಳುವ ಹಾಗೂ ಯೇಸುವನ್ನು ನಾಶಗೊಳಿಸುವ ಹಾಗೂ ಜನರನ್ನು
ಒಡಂಬಡಿಸಿದರು. ೨೧ ಅದಕ್ಕೆ ದೇಶಾಧಿಪತಿಯು ಅವರನ್ನು – ಈ ಇಬ್ಬರಲ್ಲಿ ಯಾರನ್ನು ನಿಮಗೆ
ಬಿಟ್ಟುಕೊಡಬೇಕನ್ನುತ್ತೀರಿ ಎಂದು ಕೇಳಲು ಬರಬ್ಬನನ್ನು ಅಂದರು ೨೨ ಪಿಲಾತನು ಅವರನ್ನು
ಹಾಗಾದರೆ ಕ್ರಿಸ್ತನನ್ನಿಸಿಕೊಳ್ಳುವ ಯೇಸುವನ್ನು ನಾನೇನು ಮಾಡಲಿ ಎಂದು ಕೇಳಲು ಎಲ್ಲರೂ
– ಅವನನ್ನು ಶಿಲುಬೆಗೆ ಹಾಕಿಸು ಅಂದರು. ೨೩ ಅದಕ್ಕವನು ಯಾಕೆ? ಕೆಟ್ಟದ್ದೇನು ಮಾಡಿದನು
?ಅಂದನು ಆದರೆ ಅವರು ಅವನನ್ನು ಶಿಲುಬೆಗೆ ಹಾಕಿಸು ಎಂದು ಬಹಳವಾಗಿ ಆರ್ಭಟಿಸಿದರು.
೨೪ ಆಗ ಪಿಲಾತನು ತನ್ನ ಯತ್ನ ನಡೆಯುವದಿಲ್ಲ ಗದ್ದಲ ಮಾತ್ರ ಹೆಚ್ಚಾಗುತ್ತದೆ ಎಂದು ತಿಳಿದು
ನೀರು ತಕ್ಕೊಂಡು ಜನರ ಮುಂದೆ ಕೈ ತೊಳಕೊಂಡು – ಈ ಪುರುಷನನ್ನು ಕೊಲ್ಲಿಸಿದ್ದಕ್ಕೆ ನಾನು
ಸೇರಿದವನಲ್ಲ ನೀವೇ ನೋಡಿಕೊಳ್ಳಿರಿ ಅನ್ನಲಾಗಿ , ೨೫ ಜನರೆಲ್ಲಾ- ಅವನನ್ನು ಕೊಲ್ಲಿಸಿದಕ್ಕೆ
ನಾವೂ ನಮ್ಮ ಮಕ್ಕಳೂ ಉತ್ತರ ಕೊಡುತ್ತೇವೆ ಅಂದರು. ೨೬ ಆಗ ಬರಬ್ಬನನ್ನು ಅವರಿಗೆ
ಬಿಟ್ಟುಕೊಟ್ಟು ಯೇಸುವನ್ನು ಕೊರಡೆಗಳಿಂದ ಹೊಡಿಸಿ ಶಿಲುಬೆಗೆ ಹಾಕುವದಕ್ಕೆ ಒಪ್ಪಿಸಿದನು.

## ಯೇಸುವನ್ನು ಅಪಹಾಸ್ಯ ಮಾಡಿ ಶಿಲುಬೆಗೆ ಹಾಕಿದ್ದು

(ಮಾರ್ಕ ೧೫. ೧೬-೪೧; ಲೂಕ೨೩. ೨೬, ೩೩-೪೯; ಯೋಹಾ ೧೯. ೨, ೩ ೧೬- ೩೦ )

೨೭ ಆ ಮೇಲೆ ದೇಶಾಧಿಪತಿಯ ಸಿಪಾಯಿಗಳು ಯೇಸುವನ್ನು ಅರಮನೆಯೊಳಕ್ಕೆ
ತೆಗೆದುಕೊಂಡು ಹೋಗಿ ಪಟಾಲಮನ್ನೆಲ್ಲಾ ಆತನ ಸುತ್ತಲೂ ಕೂಡಿಸಿಕೊಂಡು ೨೮ ಆತನ
ಬಟ್ಟೆಗಳನ್ನು ತೆಗೆದುಹಾಕಿ ಕೆಂಪು ಒಲ್ಲಿಯನ್ನು ಹೊದಿಸಿ, ೨೯ ಮುಳ್ಳುಬಳ್ಳಿಯಿಂದ ಕಿರೀಟವನ್ನು
ಹೆಣೆದು ಆತನ ತಲೆಯ ಮೇಲೆ ಇಟ್ಟು ಬಲಗೈಯಲ್ಲಿ ಬೆತ್ತವನ್ನು ಕೊಟ್ಟು ಆತನ ಮುಂದೆ
ಮೊಣಕಾಲೂರಿ – ಯೆಹೂದ್ಯರ ಅರಸನೇ ನಿನಗೆ ನಮಸ್ಕಾರ ಎಂದು ಆತನನ್ನು ಪರಿಹಾಸ್ಯ
ಮಾಡಿದರು. ೩೦ ಮತ್ತು ಆತನ ಮೇಲೆ ಉಗುಳಿ ಆ ಬೆತ್ತವನ್ನು ಕಸಕೊಂಡು ಆತನ ತಲೆಯ ಮೇಲೆ

ಹೊಡೆದರು. ೩೧ ಹೀಗೆ ಆತನನ್ನು ಪರಿಹಾಸ್ಯ ಮಾಡಿದ ಮೇಲೆ ಆ ಒಲ್ಲಿಯನ್ನು ತೆಗೆದು ಆತನ
ಬಟ್ಟೆಗಳನ್ನು ಹೊದಿಸಿ ಆತನನ್ನು ಶಿಲುಬೆಗೆ ಹಾಕುವದಕ್ಕೆ ತೆಗೆದುಕೊಂಡು ಹೋದರು.
೩೨ ಹೊರಕ್ಕೆ ಹೋಗುತ್ತಿರುವಾಗ ಕುರೇನೆಪಟ್ಟಣದ ಸೀಮೋನನೆಂಬವನನ್ನು ಕಂಡು ಅವನನ್ನು
ಆತನ ಶಿಲುಬೆಯನ್ನು ಹೊರುವದಕ್ಕೆ ಬಿಟ್ಟೀಹಿಡಿದರು. ೩೩ ಮತ್ತು ಗೊಲ್ಗೊಥಾ ಅಂದರೆ
ಕಪಾಲಸ್ಥಳ ಎಂಬ ಸ್ಥಾನಕ್ಕೆ ಬಂದಾಗ, ೩೪ ಆತನಿಗೆ ಕಹಿ ಬೆರಸಿದ ದ್ರಾಕ್ಷಾರಸವನ್ನು ಕುಡಿಯುವದಕ್ಕೆ
ಕೊಟ್ಟರು. ಆತನು ಅದನ್ನು ರುಚಿ ನೋಡಿ ಕುಡಿಯಲೊಲ್ಲದೆ ಇದ್ದನು. ೩೫ ಬಳಿಕ ಅವರು
ಆತನನ್ನು ಶಿಲುಬೆಗೆ ಹಾಕಿ ಆತನ ಬಟ್ಟೆಗಳಿಗಾಗಿ ಚೀಟು ಹಾಕಿ ಪಾಲುಮಾಡಿಕೊಂಡರು.
೩೬ ಮತ್ತು ಅಲ್ಲಿ ಕೂತುಕೊಂಡು ಆತನನ್ನು ಕಾಯುತ್ತಾ ಇದ್ದರು. ೩೭ ಇದಲ್ಲದೆ ಆತನ ಮೇಲೆ
ಹೊರಸಿದ ಅಪರಾಧವನ್ನು ಬರೆದು ಆತನ ತಲೆಯ ಮೇಲ್ಗಡೆ ಹಚ್ಚಿದರು. ಅದೇನಂದರೆ-
ಇವನು ಯೇಸು ಯೆಹೂದ್ಯರ ಅರಸನು ಎಂಬದೇ. ೩೮ ಆಗ ಇಬ್ಬರು ಕಳ್ಳರನ್ನು ತಂದು ಒಬ್ಬನನ್ನು
ಬಲಗಡೆಯಲ್ಲಿ ಒಬ್ಬನನ್ನು ಎಡಗಡೆಯಲ್ಲಿ ಆತನ ಸಂಗಡ ಶಿಲುಬೆಗೆ ಹಾಕಿದರು. ೩೯ ಅಲ್ಲಿ
ಹಾದುಹೋಗುತ್ತಿರುವವರು ತಲೆ ಆಡಿಸಿ, ೪೦ ದೇವಾಲಯವನ್ನು ಕೆಡವಿ ಮೂರು ದಿನದಲ್ಲಿ
ಕಟ್ಟುವವನೇ ನಿನ್ನನ್ನು ರಕ್ಷಿಸಿಕೋ ದೇವರು ಮಗನು ಆಗಿದ್ದರೆ ಶಿಲುಬೆಯಿಂದ ಇಳಿದು
ಬಾ ಎಂದು ಆತನನ್ನು ಹಂಗಿಸುತ್ತಿದ್ದರು. ೪೧ ಅದೇ ಮೇರೆಗೆ ಮಹಾಯಾಜಕರೂ ಶಾಸ್ತ್ರಿಗಳೂ
ಹಿರಿಯರೂ ಅವನು ಮತ್ತೊಬ್ಬರನ್ನು ರಕ್ಷಿಸಿದನು ತನ್ನನ್ನು ರಕ್ಷಿಸಿಕೊಳ್ಳಲಾರನು. ೪೨ ಅವನು
ಇಸ್ರಾಯೇಲಿನ ಅರಸನಲ್ಲವೇ. ಈಗ ಶಿಲುಬೆಯಿಂದ ಇಳಿದು ಬರಲಿ ಇಳಿದು ಬಂದರೆ ಅವನಲ್ಲಿ
ನಂಬಿಕೆಯಿಟ್ಟೇವು. ೪೩ ದೇವರಲ್ಲಿ ಭರವಸವಿಟ್ಟಿದ್ದಾನೆ, ದೇವರು ಅವನಲ್ಲಿ ಇಷ್ಟಪಟ್ಟರೆ ಈಗ
ಅವನನ್ನು ಬಿಡಿಸಲಿ.ತಾನು ದೇವರ ಮಗನಾಗಿದ್ದೇನೆಂದು ಹೇಳಿದನಲ್ಲಾ ಎಂದು ಹಾಸ್ಯದಿಂದ
ಮಾತಾಡುತ್ತಿದ್ದರು. ೪೪ ಆತನ ಸಂಗಡ ಶಿಲುಬೆಗೆ ಹಾಕಲ್ಪಟ್ಟ ಕಳ್ಳರು ಸಹ ಆತನನ್ನು ಅದೇ ಪ್ರಕಾರ
ನಿಂದಿಸುತ್ತಿದ್ದರು.
೪೫ ಮದ್ಯಾಹ್ನ ಹನ್ನೆರಡು ಘಂಟೆಯಿಂದ ಮೂರು ಘಂಟೆಯ ವರೆಗೆ ಆ ದೇಶದ ಮೇಲೆಲ್ಲಾ
ಕತ್ತಲೆ ಕವಿಯಿತು. ೪೬ ಸುಮಾರು ಮೂರು ಘಂಟೆಗೆ ಯೇಸು – ಏಲೀ ಏಲೀ ಲಮಾ
ಸಬಕ್ತಾನೀ ಅಂದರೆ, ನನ್ನ ದೇವರೇ ನನ್ನ ದೇವರೇ, ಯಾಕೆ ನನ್ನನ್ನು ಕೈಬಿಟ್ಟಿದ್ದೀ ಎಂದು
ಮಹಾ ಧ್ವನಿಯಿಂದ ಕೂಗಿಕೊಂಡನು. ೪೭ ಅಲ್ಲಿ ನಿಂತಿದ್ದವರಲ್ಲಿ ಕೆಲವರು ಅದನ್ನು ಕೇಳಿ –
ಇವನು ಎಲೀಯನನ್ನು ಕರೆಯುತ್ತಾನೆ ಅಂದನು. ೪೮ ಕೂಡಲೇ ಅವರಲ್ಲಿ ಒಬ್ಬನು ಓಡಿಹೋಗಿ
ಸ್ಪಂಜನ್ನು ತಂದು ಹುಳಿರಸದಿಂದ ತುಂಬಿಸಿ ಕೋಲಿಗೆ ಸಿಕ್ಕಿಸಿ ಆತನಿಗೆ ಕುಡಿಯುವದಕ್ಕೆ
ಕೊಟ್ಟನು. ೪೯ ಮಿಕ್ಕಾದವರು – ಬಿಡು ಎಲೀಯನು ಬಂದು ಅವನನ್ನು ರಕ್ಷಿಸುವನೇನೋ
ನೋಡೋಣ ಅಂದರು. ೫೦ ಯೇಸು ತಿರಿಗಿ ಮಹಾ ಧ್ವನಿಯಿಂದ ಕೂಗಿ ಪ್ರಾಣಬಿಟ್ಟನು.
೫೧ ಆಗ ಇಗೋ ದೇವಾಲಯದ ತೆರೆಯು ಮೇಲಿಂದ ಕೆಳಗಿನವರೆಗೂ ಹರಿದು ಎರಡು
ಭಾಗವಾಯಿತು. ಭೂಮಿಯು ಅದರಿತು. ೫೨ ಬಂಡೆಗಳು ಸೀಳಿಹೋದವು. ಸಮಾಧಿಗಳು
ತೆರೆದವು. ನಿದ್ದೆಹೋಗಿದ್ದ ಅನೇಕ ಭಕ್ತರ ದೇಹಗಳು ಎದ್ದವು. ೫೩ ಮತ್ತು ಆತನು ಎದ್ದ ಮೇಲೆ
ಸಮಾಧಿಗಳೊಳಗಿಂದ ಹೊರಗೆ ಬಂದು ಅನೇಕರಿಗೆ ಕಾಣಿಸಿಕೊಂಡರು. ೫೪ ಶತಾಧಿಪತಿಯು
ಮತ್ತು ಅವನ ಸಂಗಡ ಯೇಸುವನ್ನು ಕಾಯುತ್ತಿದ್ದವರು ಭೂಕಂಪವನ್ನೂ ನಡೆದ ಸಂಗತಿಗಳನ್ನೂ
ನೋಡಿ ಬಹಳ ಹೆದರಿಕೊಂಡು ನಿಜವಾಗಿ ಈತನು ದೇವಕುಮಾರನಾಗಿದ್ದನು ಅಂದರು.
೫೫ ಇದಲ್ಲದೆ ಅನೇಕ ಸ್ತ್ರೀಯರು ಅಲ್ಲಿ ಇದ್ದು ದೂರದಿಂದ ನೋಡುತ್ತಿದ್ದರು. ಇವರು ಯೇಸುವಿನ
ಸೇವೆಮಾಡುತ್ತಾ ಗಲಿಲಾಯದಿಂದ ಆತನ ಹಿಂದೆ ಬಂದಿದ್ದರು. ೫೬ ಇವರಲ್ಲಿ ಮಗ್ದಲದ
ಮರಿಯಳೂ ಯಾಕೋಬನ ಯೋಸೇಯರ ತಾಯಿಯಾದ ಮರಿಯಳೂ ಜೆಬೆದಾಯನ ಮಕ್ಕಳ
ತಾಯಿಯೂ ಇದ್ದಳು.

### ಶಿಷ್ಯರು ಯೇಸುವಿನ ದೇಹವನ್ನು ಸಮಾಧಿಯಲ್ಲಿ ಇರಿಸಿದ್ದು.ಅಧಿಕಾರಸ್ಥರು ಕಾವಲಿಟ್ಟಿದ್ದು.

(ಮಾರ್ಕ ೧೫. ೪೨-೪೭ ; ಲೂಕ ೨೩.೫೦-೫೬; ಯೋಹಾ ೧೯. ೩೮-೪೨)

೫೭ ಸಂಜೆಯಾದಾಗ ಅರಿಮಥಾಯದ ಯೋಸೇಫನೆಂಬ ಒಬ್ಬ ಧನವಂತನು ಬಂದನು. ಇವನು
ಸಹ ಯೇಸುವಿನ ಶಿಷ್ಯನಾಗಿದ್ದನು. ೫೮ ಇವನು ಪಲಾತನ ಬಳಿಗೆ ಹೋಗಿ ಯೇಸುವಿನ
ದೇಹವನ್ನು ತನಗೆ ಕೊಡಿಸಬೇಕೆಂದು ಬೇಡಿಕೊಳ್ಳಲಾಗಿ ಪಲಾತನು ಅದನ್ನು ಕೊಡಬೇಕೆಂದು
ಅಪ್ಪಣೆಮಾಡಿದನು. ೫೯ ಯೋಸೇಫನು ಆ ದೇಹವನ್ನು ತೆಗೆದುಕೊಂಡು ಅದನ್ನು ಶುದ್ಧವಾದ
ನಾರುಮಡಿಯಲ್ಲಿ ಸುತ್ತಿ ೬೦ ಬಂಡೆಯಲ್ಲಿ ತೊಡಿದ್ದ ತನ್ನ ಹೊಸ ಸಮಾಧಿಯಲ್ಲಿ ಇಟ್ಟು ಸಮಾಧಿಯ

ಬಾಗಲಿಗೆ ದೊಡ್ಡ ಕಲ್ಲನ್ನು ಉರುಳಿಸಿ ಹೋದನು. ೬೧ ಮಗ್ದಲದ ಮರಿಯಳೂ ಆ ಬೇರೆ
ಮರಿಯಳೂ ಅಲ್ಲಿ ಸಮಾಧಿಗೆ ಎದುರಾಗಿ ಕೂತಿದ್ದರು.
೬೨ ಮರುದಿನ ಅಂದರೆ ಸೌರಣೆಯ ದಿನ ಕಳೆದ ಮೇಲೆ ಮಹಾಯಾಜಕರೂ ಫರಿಸಾಯರೂ
ಪಿಲಾತನ ಬಳಿಗೆ ಕೂಡಿಬಂದು, ೬೩ ದೊರೆಯೇ, ಆ ಮೋಸಗಾರನು ಬದುಕಿದ್ದಾಗ ತಾನು ಮೂರು
ದಿನದ ಮೇಲೆ ಏಳುತ್ತೇನೆ ಅಂತ ಹೇಳಿದ್ದು ನಮ್ಮ ನೆನಪಿಗೆ ಬಂತು ೬೪ ಆದಕಾರಣ ಮೂರನೆಯ
ದಿನದ ತನಕ ಸಮಾಧಿಯನ್ನು ಭದ್ರಮಾಡಿ ಕಾಯುವದಕ್ಕೆ ಅಪ್ಪಣೆಕೊಡಬೇಕು. ಇಲ್ಲದಿದ್ದರೆ ಅವನ
ಶಿಷ್ಯರು ಬಂದು ಅವನನ್ನು ಕದ್ದುಕೊಂಡು ಹೋಗಿ ಸತ್ತವನು ಬದುಕಿ ಬಂದಿದ್ದಾನೆ ಎಂದು ಹೇಳಾರು.
ಆಗ ಮೊದಲನೆಯ ಮೋಸಕ್ಕಿಂತ ಕಡೆಯ ಮೋಸವು ಕೆಡುಕಾದೀತು ಅಮದನು. ೬೫ ಪಿಲಾತನು
ಅವರಿಗೆ- ಕಾವಲುಗಾರರನ್ನು ತಕ್ಕೊಳ್ಳಿ ; ಹೋಗಿ ನಿಮಗೆ ತಿಳಿದ ಹಾಗೆ ಭದ್ರಮಾಡಿ ಕಾಯಿರಿ
ಎಂದು ಹೇಳಲಾಗಿ ೬೬ ಅವರು ಹೊರಟು ಕಾವಲುಗಾರರೊಂದಿಗೆ ಆ ಕಲ್ಲಿಗೆ ಮುದ್ರೆಹಾಕಿ
ಸಮಾಧಿಯನ್ನು ಭದ್ರಮಾಡಿದರು.

### ಯೇಸುವಿನ ಪುನರುತ್ಥಾನವು.

(ಮಾರ್ಕ ೧೬.೧-೧೦; ಲೂಕ ೨೪. ೧-೧೦; ಯೋಹಾ ೨೦.೧-೧೮)

೨೮ ೧ ಸಬ್ಬತ್ ದಿನ ಆದ ಮೇಲೆ ವಾರದ ಮೊದಲನೆ ದಿವಸ ಬೆಳಗಗುವಾಗ ಮಗ್ದಲದ
ಮರಿಯಳೂ ಆ ಬೇರೆ ಮರಿಯಳೂ ಸಮಾಧಿಯನ್ನು ನೋಡುವದಕ್ಕೆ ಬಂದರು. ೨ ಆಗ
ಮಹಾ ಬೂಕಂಪವಾಯಿತು. ಕರ್ತನ ದೂತನು ಆಕಾಶದಿಂದ ಇಳಿದು ಬಂದು ಆ ಕಲ್ಲನ್ನು ಬಾಗಲಿನಿಂದ
ಉರುಳಿಸಿ ಅದರ ಮೇಲೆ ಕೂತುಕೊಂಡನು. ೩ ಅವನ ಮುಖಬಾವವು ಮಿಂಚಿನಂತೆ ಇತ್ತು.
ಅವನ ಉಡುಪು ಹಿಮದಂತೆ ಬೆಳ್ಳಗಿತ್ತು. ೪ ಕವಲುಗಾರರು ಅವನಿಗೆ ಹೆದರಿ ನಡುಗಿ ಸತ್ತವರ
ಹಾಗಾದರು. ೫ ಆಗ ದೂತನು ಆ ಹೆಂಗಸರಿಗೆ – ನೀವು ಹೆದರಬೇಡಿರಿ. ಶಿಲುಬೆಗೆ ಹಾಕಲ್ಪಟ್ಟಂತ
ಯೇಸುವನ್ನು ನೀವು ಹುಡುಕುತ್ತೀರೆಂದು ಬಲ್ಲೆನು. ಆತನು ಇಲ್ಲಿ ಇಲ್ಲ. ೬ ತಾನು ಹೇಳಿದಂತೆ
ಎದ್ದಿದ್ದಾನೆ. ಬನ್ನಿ ಆತನು ಮಲಗಿದ್ದ ಸ್ಥಳವನ್ನು ನೋಡಿರಿ. ೭ ಮತ್ತು ಬೇಗ ಹೋಗಿ ಆತನ
ಶಿಷ್ಯರಿಗೆ – ಸತ್ತವನು ಬದುಕಿದ್ದಾನೆ, ಆತನು ನಿಮ್ಮ ಮುಂದೆ ಗಲಿಲಾಯಕ್ಕೆ ಹೋಗುತ್ತಾನೆ.
ಅಲ್ಲಿ ಆತನನ್ನು ಕಾಣುವಿರಿ ಎಂದು ತಿಳಿಸಿರಿ. ನಾನು ನಿಮಗೆ ಹೇಳಿದ್ದೇನೆ ನೋಡಿರಿ ಎಂದು
ಹೇಳಿದನು. ೮ ಅವರು ಭಯದಿಂದ ಮಹಾ ಸಂತೋಷದಿಂದ ಬೇಗ ಸಮಾಧಿಯ ಬಳಿಯಿಂದ
ಹೊರಟು ಆತನ ಶಿಷ್ಯರಿಗೆ ತಿಳಿಸುವದಕ್ಕೆ ಓಡಿಹೋದರು. ೯ ಆಗ ಯೇಸು ಅವರ ಎದುರಿಗೆ
ಬಂದು – ನಮಗೆ ಶುಭವಾಗಲಿ ಅಂದನು. ಅವರು ಹತ್ತಿರಕ್ಕೆ ಬಂದು ಆತನ ಪಾದಗಳನ್ನು
ಹಿಡಿದು ಆತನಿಗೆ ನಮಸ್ಕಾರ ಮಾಡಿದರು. ೧೦ ಯೇಸು ಅವರಿಗೆ – ಹೆದರಬೇಡಿರಿ. ನನ್ನ
ಸಹೋದರರ ಬಳಿಗೆ ಹೋಗಿ ಅವರು ಗಲಿಲಾಯಕ್ಕೆ ಹೋಗಬೇಕೆಂದು ಹೇಳಿರಿ; ಅಲ್ಲಿ
ನನ್ನನ್ನು ನೋಡುವರು ಎಂದು ಹೇಳಿದನು. ೧೧ ಅವರು ಹೋಗುತ್ತಿರುವಾಗ ಕಾವಲುಗಾರರಲ್ಲಿ
ಕೆಲವರು ಪಟ್ಟಣದೊಳಕ್ಕೆ ಬಂದು ನಡೆದ ಸಂಗತಿಗಳನ್ನೆಲ್ಲಾ ಮಹಾಯಾಜಕರಿಗೆ ತಿಳಿಸಿದರು.
೧೨ ಇವರು ಹಿರಿಯರ ಸಂಗಡ ಕೂಡಿಕೊಂಡು ಆಲೋಚನೆ ಮಾಡಿ ಆ ಸಿಪಾಯಿಗಳಿಗೆ ಬಹಳ
ಹಣಕೊಟ್ಟು – ೧೩ ಅವನ ಶಿಷ್ಯರು ರಾತ್ರಿಯಲ್ಲಿ ಬಂದು ನಾವಯ ನಿದ್ದೆಮಾಡುತ್ತಿರುವಾಗ ಅವನನ್ನು
ಕದ್ದುಕೊಂಡು ಹೋದರು ಎಂದು ಹೇಳಿರಿ ೧೪ ಈ ಸುದ್ದಿ ಶತಾಧಿಪತಿಯ ಕಿವಿಗೆ ಬಿದ್ದರೆ ನಾವು
ಅವನನ್ನು ಸಮಾಧಾನಪಡಿಸಿ ನಿಮಗೆ ಭಯವಿಲ್ಲದ ಹಾಗೆ ಮಾಡುತ್ತೇವೆ ಅಂದರು. ೧೫ ಇವರು ಆ
ಹಣವನ್ನು ತೆಗೆದುಕೊಂಡು ತಮಗೆ ಹೇಳಿಕೊಟ್ಟ ಹಾಗೆ ಮಾಡಿದರು. ಈ ಮಾತು ಇಂದಿನವರೆಗೂ
ಯೆಹೂದ್ಯರಲ್ಲಿ ಹಬ್ಬಿ ಅದೆ. ಯೇಸುವಿನ ಕಡೇ ಮಾತುಗಳು ೧೬ ಬಳಿಕ ಹನ್ನೊಂದು ಮಂದಿ
ಶಿಷ್ಯರು ಗಲಿಲಾಯಕ್ಕೆ ಹೋಗಿ ತಮಗೆ ಗೊತ್ತುಮಾಡಿದ್ದ ಬೆಟ್ಟಕ್ಕೆ ಸೇರಿದರು. ೧೭ ಅಲ್ಲಿ ಆತನನ್ನು
ಕಂಡು ಆತನಿಗೆ ಅಡ್ಡಬಿದ್ದರು. ಆದರೆ ಕೆಲವರು ಸಂದೇಹಪಟ್ಟರು. ೧೮ ಆಗ ಯೇಸು ಹತ್ತರಕ್ಕೆ
ಬಂದು – ಪರಲೋಕದಲ್ಲಿಯೂ ಭೂಲೋಕದಲ್ಲಿಯೂ ಎಲ್ಲಾ ಅಧಿಕಾರವು ನನಗೆ ಕೊಡಲ್ಪಟ್ಟಿದೆ.
೧೯ ಆದ್ದರಿಂದ ನೀವು ಹೋರಟುಹೋಗಿ ಎಲ್ಲಾ ದೇಶಗಳ ಜನರನ್ನು ಶಿಷ್ಯರನ್ನಾಗಿ ಮಾಡಿರಿ
ಅವರಿಗೆ ತಂದೆಯ ಮಗನ ಪವಿತ್ರಾತ್ಮನ ಹೆಸರಿನಲ್ಲಿ ದೀಕ್ಷಾಸ್ನಾನಮಾಡಿಸಿ, ೨೦ ನಾನು ನಿಮಗೆ
ಆಜ್ಞಾಪಿಸಿದ್ದನ್ನೆಲ್ಲಾ ಕಾಪಾಡಿಕೊಳ್ಳುವದಕ್ಕೆಅವರಿಗೆ ಉಪದೇಶ ಮಾಡಿರಿ. ನೋಡಿರಿ, ನಾನು
ಯುಗದ ಸಮಾಪ್ತಿಯವರೆಗೂ ಎಲ್ಲಾ ದಿವಸ ನಿಮ್ಮ ಸಂಗಡ ಇರುತ್ತೇನೆ ಎಂದು ಹೇಳಿದರು.

# ಮಾರ್ಕನು ಬರೆದ ಸುವಾರ್ತೆ

## ಸ್ನಾನಿಕನಾದ ಯೋಹಾನನ ವಿಷಯ

(ಮತ್ತಾ ೩. ೧-೧೨; ಲೂಕ ೩. ೧-೧೮; ಯೋಹಾ ೧. ೧೯-೨೮ )

೧ [೧] ದೇವಕುಮಾರನಾದ ಯೇಸು ಕ್ರಿಸ್ತನ ವಿಷಯವಾದ ಸುವಾರ್ತೆಯ ಪ್ರಾರಂಭವು
[೨] ಇಗೋ ನಾನು ನನ್ನ ದೂತನನ್ನು ನಿನ್ನ ಮುಂದೆ ಕಳುಹಿಸುತ್ತೇನೆ; ನೀನು ಹೋಗುವ
ದಾರಿಯನ್ನು ಅವನು ಸರಿ ಮಾಡುವನೆಂತಲೂ
[೩] ಕರ್ತನ ದಾರಿಯನ್ನು ಸಿದ್ಧಮಾಡಿರಿ ಆತನ ಹಾದಿಯನ್ನು ನೆಟ್ಟಗೆ ಮಾಡಿರಿ ಎಂದು
ಅಡವಿಯಲ್ಲಿ ಕೂಗುವವನ ಶಬ್ದವದೆ ಎಂಬದಾಗಿ [೪] ಪ್ರವಾದಿಯಾದ ಯೆಶಾಯನ ಗ್ರಂಥದಲ್ಲಿ
ಬರೆದಿರುವ ಪ್ರಕಾರ ಯೋಹಾನನು ಬಂದು ಜನರಿಗೆ ನೀವು ಪಾಪಹರಿಹಾರಕ್ಕಾಗಿ ದೇವರ
ಕಡೆಗೆ ತಿರುಗಿಕೊಂಡು ದೀಕ್ಷಾಸ್ನಾನಮಾಡಿಸುತ್ತಾ ಇದ್ದನು. [೫] ಆಗ ಯೂದಾಯ ಸೀಮೆಯೆಲ್ಲವೂ
ಯೆರೂಸಲೇಮಿನವರೆಲ್ಲರೂ ಅವರ ಬಳುಗೆ ಹೊರಟುಹೋಗಿ ತಮ್ಮ ತಮ್ಮ ಹಾಹಗಳನ್ನು
ಹೇಳಿಕೊಂಡು ಯೊರ್ದನ ಹೊಳೆಯಲ್ಲಿ ಅವನಿಂದ ದೀಕ್ಷಾಸ್ನಾನಮಾಡಿಸಿಕೊಳ್ಳುತ್ತಿದ್ದರು. [೬] ಈ
ಯೋಹಾನನು ಒಂಟೆಯ ಕೂದಲಿನ ಹೊದಿಕೆಯನ್ನು ಹೊದ್ದುಕೊಂಡು ಸೊಂಟಕ್ಕೆ ತೊಗಲಿನ
ನಡುಕಟ್ಟನ್ನು ಕಟ್ಟಿಕೊಂಡಿದ್ದನು. ಅವನು ಮಿಡತೆಯನ್ನೂ ಕಾಡುಜೇನನ್ನೂ ಆಹಾರಮಾಡುತ್ತಿದ್ದನು.
[೭] ಅವನ ನನಗಿಂತ ಶಕ್ತನು ನನ್ನ ಹಿಂದೆ ಬರುತ್ತಾನೆ. ಆತನ ಕೆರಗಳ ಬಾರನ್ನು ಬೊಗ್ಗಿಕೊಂಡು
ಬಿಚ್ಚುವದಕ್ಕೂ ನಾನು ಯೋಗ್ಯನಲ್ಲ. [೮] ನಾನು ನಿಮಗೆ ನೀರಿನ ಸ್ನಾನ ಮಾಡಿಸಿದೆನು
ಆತನಾದರೋ ನಿಮಗೆ ಪವಿತ್ರಾತ್ಮನ ಸ್ನಾನಮಾಡಿಸುವನು ಎಂದು ಸಾರಿ ಹೇಳಿದನು.

## ಯೇಸು ಪ್ರತಿಷ್ಠೆ ಹೊದಿ ತನ್ನ ಉದ್ಯೋಗವನ್ನು ಪ್ರಾರಂಭಿಸಿದ್ದು.

(ಮತ್ತಾ ೩. ೧೩-೪.೧೭; ಲೂಕ ೩. ೨೧,೨೨ ೪. ೧-೧೫, ಯೋಹಾ ೧. ೩೧-೩೩)

[೯] ಆ ದಿನಗಳಲ್ಲಿ ಯೇಸು ಗಲಿಲಾಯ ಸೀಮೆಗೆ ಸೇರಿದ ನಜರೇತೆಂಬ ಊರಿನಿಂದ
ಬಂದು ಯೋರ್ದಾನ ಹೊಳೆಯಲ್ಲಿ ಯೋಹಾನನಿಂದ ಸ್ನಾನ ಮಾಡಿಸಿಕೊಂಡನು.
[೧೦] ಸ್ನಾನಮಾಡಿಸಿಕೊಂಡ ಕೂಡಲೆ ಆತನು ನೀರಿನೊಳಗಿಂದ ಮೇಲಕ್ಕೆ ಬರಲು
ಆಕಾಶವೊಡೆದು ದೇವರಾತ್ಮವು ಪಾರಿವಾಳದ ಹಾಗೆ ತನ್ನ ಮೇಲೆ ಇಳಿಯುವದನ್ನು ಕಂಡನು.
[೧೧] ಆಗ ನೀನು ಪ್ರಿಯನಾಗಿರುವ ನನ್ನ ಮಗನು ನಿನ್ನನ್ನು ನಾನು ಮೆಚ್ಚಿದ್ದೇನೆ ಎಂದು ಆಕಾಶವಾಣಿ
ಆಯಿತು.
[೧೨] ಕೂಡಲೆ ಯೇಸು ದೇವರಾತ್ಮಪ್ರೇರಿತನಾಗಿ ಅಡವಿಗೆ ಹೋದನು. [೧೩] ಆತನು ನಾಲ್ವತ್ತು
ದಿವಸ ಅಡವಿಯಲ್ಲಿ ಮೃಗಗಳೊಂದಿಗೆ ಇದ್ದು ಸೈತಾನನಿಂದ ಶೋಧಿಸಲ್ಪಡುವವನಾದನು.ಮತ್ತು
ದೇವದೂತರು ಆತನಿಗೆ ಉಪಚಾರ ಮಾಡುವವರಾದರು. [೧೪] ಯೋಹಾನನು ಸೆರೆಗೆ ಬಿದ್ದ ಮೇಲೆ
ಯೇಸು ಗಲಿಲಾಯ ಸೀಮೆಗೆ ಬಂದು - [೧೫] ಕಾಲ ಪರಿಪೂರ್ಣವಾಯಿತು ದೇವರ ರಾಜ್ಯವು
ಸಮೀಪಿಸಿತು ದೇವರ ಕಡೆಗೆ ತಿರುಗಿಕೊಂಡು ಸುವಾರ್ತೆಯನ್ನು ನಂಬಿರಿ ಎಂದು ದೇವರ
ಮುವಾರ್ತೆಯನ್ನು ಸಾರಿಹೇಳಿದನು.

## ಯೇಸು ಪ್ರಥಮ ಶಿಷ್ಯರನ್ನು ಮಾಡಿಕೊಂಡಿದ್ದು.

(ಮತ್ತಾ. ೪. ೧೮-೨೨ ; ಲೂಕ ೫. ೧-೧೨)

[೧೬] ಹೀಗಿರುವಲ್ಲಿ ಆತನು ಗಲಿಲಾಯ ಸಮುದ್ರದ ಬಳಿಯಲ್ಲಿ ಹೋಗುತ್ತಿರುವಾಗ
ಸೀಮೋನನೂ ,ಸೀಮೋನನ ತಮ್ಮನಾದ ಅಂದ್ರೆಯನೂ ಸಮುದ್ರದಲ್ಲಿ ಬಲೆ ಬೀಸುವದನ್ನು
ಕಂಡನು. [೧೭] ಅವರು ಬೆಸ್ತರು. ಯೇಸು ಅವರಗೆ ನನ್ನ ಹಿಂದೆ ಬನ್ನಿರಿ, ಮನುಷ್ಯರನ್ನು ಹಿಡಿಯುವ
ಬೆಸ್ತರನ್ನಾಗಿ ನಿಮ್ಮನ್ನು ಮಾಡುವೆನು ಎಂದು ಹೇಳುತ್ತಲೇ [೧೮] ಅವರು ತಮ್ಮ ಬಲೆಗಳನ್ನು
ಬಿಟ್ಟು ಆತನ ಹಿಂದೆ ಹೋದರು. [೧೯] ಇನ್ನು ಸ್ವಲ್ಪ ಮುಂದೆ ಹೋಗಿ ಜೆಬೆದಾಯನ ಮಗನಾದ
ಯಾಕೋಬನನ್ನೂ ಅವನ ತಮ್ಮನಾದ ಯೋಹಾನನನ್ನೂ ಕಂಡನು. [೨೦] ಇವರು ದೋಣಿಯಲ್ಲಿ ತಮ್ಮ
ಬಲೆಗಳನ್ನು ಸರಿಮಾಡುತ್ತಿದ್ದರು. ಕೂಡಲೇ ಇವರನ್ನು ಕರೆದನು. ಅವರು ತಮ್ಮ ತಂದೆಯಾದ
ಜೆಬೆದಾಯನನ್ನೂ ಕೂಲಿಯಾಳುಗಳ ಸಂಗಡ ದೋಣಿಯಲ್ಲಿ ಬಿಟ್ಟು ಆತನ ಹಿಂದೆ ಹೋದರು.

## ಯೇಸು ಉಪದೇಶಮಾಡಿ ದೆವ್ವಗಳನ್ನು ಬಿಡಿಸಿ ರೋಗಿಗಳನ್ನು ಸ್ವಸ್ಥಮಾಡಿ ಹೆಸರುಹೊಂಡದ್ದು.

(ಮತ್ತಾ ೮. ೧೪-೧೬ ; ಲೂಕ ೪ .೩೧-೪೧.)

೨೧ ಬಳಿಕ ಅವರು ಕಪೆರ್ನೌಮೆಂಬ ಊರಿಗೆ ಸೇರಿದರು. ಕೂಡಲೆ ಸಬ್ಬತದಿನದಲ್ಲಿ
ಯೇಸು ಸಭಾಮಂದಿರಕ್ಕೆ ಹೋಗಿ ಉಪದೇಶ ಮಾಡಿದನು. ೨೨ ಜನರು ಆತನ ಉಪದೇಶಕ್ಕೆ
ಆಶ್ಚರ್ಯಪಟ್ಟರು. ಯಾಕಂದರೆ ಆತನು ಶಾಸ್ತ್ರಿಗಳಂತೆ ಉಪದೇಶ ಮಾಡದೇ ಅಧಿಕಾರವಿದ್ದವನಂತೆ
ಅವರಿಗೆ ಉಪದೇಶಮಾಡುತ್ತಿದ್ದನು. ೨೩ ಆಗ ಆವರು ಸಭಾಮಂದಿರದಲ್ಲಿ ದೆವ್ವ ಹಿಡಿದ ಒಬ್ಬ
ಮನುಷ್ಯನಿದ್ದನು. ೨೪ ಆ ದೆವ್ವವು – ನಜರೇತಿನ ಯೇಸುವೇ ನಮ್ಮ ಗೊಡವೆ ನಿನಗೇಕೆ?
ನಮ್ಮನ್ನು ನಾಶಮಾಡುವದಕ್ಕೆ ಬಂದಿಯಾ? ನಿನ್ನನ್ನು ಬಲ್ಲೆನು ನೀನು ದೇವರು ಪ್ರತಿಷ್ಠಿಸಿದವನೇ
ಎಂದು ಕೂಗಿ ಹೇಳಿತು. ೨೫ ಯೇಸು ಅದನ್ನು ಗದರಿಸಿ- ಸುಮ್ಮನಿರು ಇವನನ್ನು ಬಿಟ್ಟು ಹೋಗು
ಎನ್ನಲಾಗಿ , ೨೬ ಆ ದೆವ್ವವು ಅವನನ್ನು ಒದ್ದಾಡಿಸಿ ಅಬ್ಬರಿಸಿ ಕೂಗಿ ಬಿಟ್ಟುಹೋಯಿತು. ೨೭ ಅದಕ್ಕೆ
ಎಲ್ಲರ್ರೈ ಬೆರಗಾಗಿ – ಇದೇನಿರಬಹುದು? ಇದು ಹೊಸ ಉಪದೇಶ. ಈತನು ಅಧಿಕಾರದಿಂದ
ದೆವ್ವಗಳಿಗೂ ಅಪ್ಪಣೆ ಕೊಡುತ್ತಾನೆ. ಅವು ಆತನ ಮಾತನ್ನು ಕೇಳುತ್ತವೆ ಎಂದು ತಮ್ಮ ತಮ್ಒಳಗೆ
ವಿಚಾರಮಾಡಿಕೊಂಡರು. ೨೮ ಕೂಡಲೆ ಆತನ ಸುದ್ದಿಯು ಗಲಿಲಾಯ ಸೀಮೆಯಲ್ಲಿ ಎಲ್ಲೆಲ್ಲಿಯೂ
ಹಬ್ಬಿತು. ೨೯ ಆ ಮೇಲೆ ಅವರು ಸಭಾಮಂದಿರದಿಂದ ಹೊರಟು ಯಾಕೋಬ ಯೋಹಾನರ
ಸಂಗಡ ಸೀಮೋನ ಅಂದ್ರೆಯರ ಮನೆಗೆ ಬಂದರು. ೩೦ ಅಲ್ಲಿ ಸೀಮೋನನ ಅತ್ತೆ ಜ್ವರ ಬಂದು
ಮಲಗಿರಲಾಗಿ ಅವರು ಆಕೆಯ ಸಂಗತಿಯನ್ನು ಆತನಿಗೆ ತಿಳಿಸಿದರು. ೩೧ ಆತನು ಹತ್ತರಕ್ಕೆ
ಬಂದು ಆಕೆಯ ಕೈಯನ್ನು ಹಿಡಿದು ಎಬ್ಬಿಸಲು ಜ್ವರವು ಆಕೆಯನ್ನು ಬಿಟ್ಟು ಹೋಯಿತು.
ಆಕೆಯು ಅವರಿಗೆ ಉಪಚಾರ ಮ್ಹಾಡಿದಳು. ೩೨ ಸಂಜೆಯಾಗಿ ಹೊತ್ತು ಮುಣುಗಿದ ಮೇಲೆ
ಜನರು ಮೈಯಲ್ಲಿ ನೆಟ್ಟಗಿಲ್ಲದವರೆಲ್ಲರನ್ನೂದೆವ್ವ ಹಿಡಿದವರನ್ನು ಆತನ ಬಳಿಗೆ ಕರತಂದರು.
೩೩ ಊರೆಲ್ಲಾ ಬಾಗಲಿನ ಮುಂದೆ ಒಟ್ಟುಗೂಡಿತ್ತು. ೩೪ ಆಗ ಆತನು ತರತರವಾದ ರೋಗಗಳಿಂದ
ಮೈಯಲ್ಲಿ ನೆಟ್ಟಗಿಲ್ಲದ ಬಹು ಜನರನ್ನು ವಾಸಿ ಮಾಡಿ ಅನೇಕ ದೆವ್ವಗಳನ್ನು ಬಿಡಿಸಿದನು. ಮತ್ತು
ತಾನು ಇಂಥವನೆಂದು ಅವುಗಳಿಗೆ ತಿಳಿದದ್ದರಿಂದ ಆತನು ಅವುಗಳನ್ನು ತಿಳಿದದ್ದರಿಂದ ಆತನು
ಅವುಗಳನ್ನು ಮಾತಾಡಗೊಡಿಸಲಿಲ್ಲ.

## ಯೇಸು ಸುವಾರ್ತೆಯನ್ನು ಸಾರುತ್ತಾ ಗಲಿಲಾಯದಲ್ಲಿ ಸಂಚರಿಸಿದ್ದು

(ಲೂಕ.೪. ೪೨-೪೪)

೩೫ ಮುಂಜಾನೆ ಇನ್ನೂ ಮೊಬ್ಬಿರುವಾಗ ಆತನು ಎದ್ದು ಹೊರಟು ಅಡವಿಯ ಸ್ಥಳಕ್ಕೆ ಹೋಗಿ
ದೇವರನ್ನು ಪ್ರಾರ್ಥಿಸುತ್ತಿದ್ದನು. ೩೬ ಸೀಮೋನನೂ ಅವನ ಸಂಗಡ ಇದ್ದವರೂ ಆತನನ್ನು
ಹಿಂದಟ್ಟಿ ಕಂಡು ೩೭ ಎಲ್ಲರೂ ನಿನ್ನನ್ನು ಹುಡುಕುತ್ತಾರೆ ಅನ್ನಲಾಗಿ ೩೮ ಆತನು ಅವರಿಗೆ ನಾವು
ಸಮೀಪದಲ್ಲಿರುವ ಬೇರೆ ಊರುಗಳಿಗೆ ಹೋಗೋಣ. ಅಲ್ಲಯೂ ನಾನು ಸುವಾರ್ತೆಯನ್ನು
ಸಾರಬೇಕು.ಇದಕ್ಕಾಗಿಯೇ ನಾನು ಹೊರಟು ಬಂದಿದ್ದೇನೆ ಎಂದು ಹೇಳಿದನು. ೩೯ ಬಳಿಕ ಆತನು
ಗಲಿಲಾಯದಲ್ಲೆಲ್ಲಾ ಹೋಗಿ ಅವರ ಸಭಾಮಂದಿರಗಳಲ್ಲಿ ಸುವಾರ್ತೆಯನ್ನು ಸಾರುತ್ತಾ ದೆವ್ವಗಳನ್ನು
ಬಿಡಿಸುತ್ತಾ ಇದ್ದನು.

## ಕುಷ್ಠರೋಗಿಯನ್ನು ಸ್ವಸ್ಥಮಾಡಿದ್ದು.

(ಮತ್ತಾ ೮ . ೨-೪; ಲೂಕ ೫ . ೧೨- ೧೬ )

೪೦ ಒಬ್ಬ ಕುಷ್ಠರೋಗಿಯು ಯೇಸುವಿನ ಬಳಿಗೆ ಬಂದು ಆತನ ಮುಂದೆ
ಮೊಣಕಾಲೂರಿಕೊಂಡು – ನಿನಗೆ ಮನಸ್ಸಿದ್ದರೆ ನನ್ನನ್ನು ಶುದ್ದಮಾಡಬಲ್ಲೆ ಎಂದು
ಬೇಡಿಕೊಳ್ಳಲು ಆತನು ಕನಿಕರಪಟ್ಟು ಕೈನೀಡಿ ಅವನನ್ನು ಮುಟ್ಟಿ-
೪೧ ನನಗೆ ಮನಸ್ಸುಂಟು ಶುದ್ದವಾಗು ಅಂದನು. ೪೨,- 44 ಕೂಡಲೆ ಅವನ ಕುಷ್ಠವು ಹೋಗಿ ಅವನು
ಶುದ್ದನಾದನು. ಆಗ ಯೇಸು ಅವನಿಗೆ ಯಾರಿಗೂ ಹೇಳಬೇಡ ನೋಡು. ಆದರೆ ಹೋಗಿ
ಯಾಜಕನಿಗೆ ನಿನ್ನ ಮೈ ತೋರಿಸಿ ಮೋಶೆಯು ನೇಮಕಮಾಡಿರುವದನ್ನು ಅರ್ಪಿಸಿ ನಿನ್ನ
ಶುದ್ದಾಚಾರವನ್ನು ನೆರವೇರಿಸು ಅದು ಜನರಿಗೆ ಸಾಕ್ಷಿಯಾಗಲಿ ಎಂದು ಖಂಡಿತವಾಗಿ ಹೇಳಿ
ಅವನನ್ನು ಕಳುಹಿಸಿಬಿಟ್ಟನು. ೪೫ ಆದರೆ ಅವನು ಹೊರಟುಹೋಗಿ ಆ ಸಂಗತಿಯನ್ನು ಬಹಳವಾಗಿ
ಸಾರಿ ಹಬ್ಬಿಸಿದ್ದರಿಂದ ಯೇಸು ಬಹಿರಂಗವಾಗಿ ಇನ್ನು ಯಾವ ಊರೊಳಕ್ಕೂ ಹೋಗಲಾರದೆ

ಹೊರಗೆ ಅಡವಿಯ ಸ್ಥಳಗಳಲ್ಲಿ ಇದ್ದನು. ಮತ್ತು ಜನರು ನಾಲ್ಕು ಕಡೆಯಿಂದಲೂ ಆತನ ಬಳಿಗೆ
ಬರುತ್ತಿದ್ದರು.

### ಯೇಸು ಒಬ್ಬ ರೋಗಿಗೆ ಪಾಪವನ್ನು ಕ್ಷಮಿಸಿದ್ದಕ್ಕೆ ಆತನ ಮೇಲೆ ಆಕ್ಷೇಪಣೆ ಮಾಡಿದ್ದು.

(ಮತ್ತಾ ೯. ೧-೮; ಲೂಕ .೫. ೧೭- ೨೬)

೨ ೧ ಕೆಲವು ದಿವಗಳಾದ ಮೇಲೆ ಆತನು ಕಪೆರ್ನೌಮಿಗೆ ತಿರಿಗಿ ಬಂದನು.
ಮನೆಯಲ್ಲಿದ್ದಾನೆಂಬ ವರ್ತಮಾನವು ಹಬ್ಬಿದಾಗ ೨,ಬಹು ಜನರು ಕೂಡಿಬಂದದ್ದರಿಂದ
ಬಾಗಲಿನ ಬಳಿಯಲ್ಲಾದರೂ ಸ್ಥಳವಿರಲಿಲ್ಲ. ಆತನು ಅವರಿಗೆ ದೇವರ ವಾಕ್ಯವನ್ನು
ಹೇಳುತ್ತಿದ್ದನು. ೩ ಅಷ್ಟರಲ್ಲಿ ಕೆಲವರು ಒಬ್ಬ ಪಾರ್ಶ್ವವಾಯುರೋಗಿಯನ್ನು ನಾಲ್ಕು ಮಂದಿಯಿಂದ
ಹೊರಸಿಕೊಂಡು ಆತನ ಬಳಿಗೆ ತಂದರು. ೪ ಜನರು ಗುಂಪು ಗುಂಪಾಗಿದ್ದದರಿಂದ ಅವರು
ಆತನ ಹತ್ತಿರಕ್ಕೆ ಸೇರಲಾರದೆ ಆತನಿದ್ದ ಮನೆಯ ಮೇಲ್ಛಾವಣಿಯನ್ನು ಬಿಚ್ಚಿ ದ್ವಾರ ಮಾಡಿ
ಪಾರ್ಶ್ವವಾಯುರೋಗಿಯು ಮಲಗಿದ್ದ ಹಾಸಿಗೆಯನ್ನು ಇಳಿಸಿದರು. ೫ ಯೇಸು ಅವರ
ನಂಬಿಕೆಯನ್ನು ನೋಡಿ ಆ ಪಾರ್ಶ್ವವಾಯುರೋಗಿಗೆ – ಮಗವೇ ನಿನ್ನ ಪಾಪಗಳು ಕ್ಷಮಿಸಲ್ಪಟ್ಟಿವೆ
ಎಂದು ಹೇಳಿದನು. ೬ ಆದರೆ ಶಾಸ್ತ್ರಿಗಳು ಕೆಲವರು ಅಲ್ಲಿ ಕೂತುಕೊಂಡಿದ್ದು – ೭ ಇವನು ಯಾಕೆ
ಹೀಗೆ ಮಾತನಾಡುತ್ತಾನೆ? ಇದು ದೇವದೂಷಣೆ . ದೇವರೊಬ್ಬನೇ ಹೊರತು ಮತ್ತಾರು
ಪಾಪಗಳನ್ನು ಕ್ಷಮಿಸಬಲ್ಲರು.ಎಂದು ತಮ್ಮ ತಮ್ಮ ಮನಸ್ಸಿನಲ್ಲಿ ಅಂದುಕೊಂಡರು. ೮ ಹೀಗೆ
ಅಂದುಕೊಳ್ಳುವದನ್ನು ಕೂಡಲೆ ಯೇಸು ತನ್ನ ಆತ್ಮದಲ್ಲಿ ತಿಳಿದುಕೊಂಡು ಅವರಿಗೆ – ನೀವು
ನಿಮ್ಮ ಮನಸ್ಸಿನಲ್ಲಿ ಯಾಕೆ ಹೀಗೆ ಅಂದುಕೊಳ್ಳೂತ್ತೀರಿ. ? ಯಾವುದು ಸುಲಬ? ೯ ನಿನ್ನ ಪಾಪಗಳು
ಕ್ಷಮಿಸಲ್ಪಟ್ಟಿವೆ ಅನ್ನುವದೋ? ಎದ್ದು ನಿನ್ನ ಹಾಸಿಗೆಯನ್ನು ತೆಗೆದುಕೊಂಡು ನಡೆ ಅನ್ನುವದೋ?
೧೦ ಆದರೆ ಪಾಪಗಳನ್ನು ಕ್ಷಮಿಸಿಬಿಡುವದಕ್ಕೆ ಮನುಷ್ಯಕುಮಾರನಿಗೆ ಭೂಲೋಕದಲ್ಲಿ ಅಧಿಕಾರ
ಉಂಟೆಂಬದು ನಿಮಗೆ ತಿಳಿಯಬೇಕು. ಎಂದು ಹೇಳಿ ಪಾರ್ಶ್ವವಾಯುರೋಗಿಯನ್ನು ನೋಡಿ
೧೧ ಎದ್ದು ನಿನ್ನ ಹಾಸಿಗೆಯನ್ನು ಎತ್ತಿಕೊಂಡು ಮನೆಗೆ ಹೋಗೆಂದು ನಿನಗೆ ಹೇಳುತ್ತೇನೆ
ಅಂದನು. ೧೨ ಅವನು ಎದ್ದು ಕೂಡಲೆ ತನ್ನ ಹಾಸಿಗೆಯನ್ನು ತೆಗೆದುಕೊಂಡು ಎಲ್ಲರ ಮುಂದೆ
ಹೊರಟುಹೋದನು.ಅದಕ್ಕೆ ಎಲ್ಲರು ಬೆರಗಾಗಿ ಇದುವರೆಗೆ ನಾವುಇಂಥದ್ದನ್ನು ಎಂದಿಗೂ
ನೋಡಿದ್ದೇ ಇಲ್ಲವೆಂದು ಹೇಳುತ್ತಾ ದೇವರನ್ನು ಕೊಂಡಾಡಿದರು.

### ಯೇಸು ಭ್ರಷ್ಟರ ಕೂಡ ಊಟಮಾಡಿದ್ದಕ್ಕೆ ಶಾಸ್ತ್ರಿಗಳು ಆತನ ಮೇಲೆ ಆಕ್ಷೇಪಣೆ ಮಾಡಿದ್ದು

(ಮತ್ತಾ ೯. ೯-೧೩. ಲೂಕ ೫. ೨೭-೩೨ )

೧೩ ಆತನು ಹೊರಟು ತಿರಿಗಿ ಸಮುದ್ರದ ಬಳಿಗೆ ಹೋದನು. ಜನರ ಗುಂಪೆಲ್ಲಾ ಆತನ ಬಳಿಗೆ
ಬಂದಾಗ ಆತನು ಅವರಿಗೆ ಉಪದೇಶ ಮಾಡಿದನು. ೧೪ ಆತನು ಅಲ್ಲಿಂದ ಹೋಗುತ್ತಿರುವಾಗ
ಸುಂಕಕ್ಕೆ ಕೂತಿದ್ದ ಅಲ್ಫಾಯನ ಮಗನಾದ ಲೇವಿಯನ್ನು ನೋಡಿ-ನನ್ನನ್ನು ಹಿಂಬಾಲಿಸು
ಎಂದು ಅವನನ್ನು ಕರೆಯಲು ಅವನು ಎದ್ದು ಆತನ ಹಿಂದೆ ಹೋದನು. ೧೫ ಅನಂತರ ಆತನು
ಅವನುಮನೆಯೊಳಗೆ ಊಟಕ್ಕೆ ಕೂತಿರುವಲ್ಲಿ ಬಹು ಮಂದಿ ಸುಂಕದವರೂ ಪಾಪಿಗಳೂ
ಯೇಸುವಿನ ಮತ್ತು ಆತನ ಶಿಷ್ಯರ ಪಜ್ತಿಯಲ್ಲೇ ಕೂತುಕೊಂಡರು. ಅಂಥವರು ಬಹು ಮಂದಿ
ಇದ್ದರು. . ೧೬ ಫರಿಸಾಯರಾದ ಶಾಸ್ತ್ರಿಗಳು ಆತನ ಹಿಂದೆ ಹೋಗಿ ಆತನು ಪಾಪಿಗಳ ಮತ್ತು
ಸುಂಕದವರ ಸಂಗಡ ಊಟಮಾಡುವದನ್ನು ಕಂಡು ಆತನ ಶಿಷ್ಯರಿಗೆ – ಈತನು ಸುಂಕದವರ ಮತ್ತು
ಪಾಪಿಗಳ ಸಂಗಡ ಊಟಮಾಡುತ್ತಾನೆ ನೋಡಿರಿ ಎಂದು ಹೇಳಿದರು. ೧೭ ಯೇಸು ಅದನ್ನು
ಕೇಳಿ – ಕ್ಷೇಮದಿಮದಿರುವವರಿಗೆ ವೈದ್ಯನು ಬೇಕೆಗಿಲ್ಲ. ಕ್ಷೇಮವಿಲ್ಲದವರಿಗೆ ಬೇಕು. ನಾನು
ನೀತಿವಂತರನ್ನು ಕರೆಯುವದಕ್ಕೆ ಬಂದವನಲ್ಲ, ಪಾಪಿಗಳನ್ನು ಕರೆಯುವದಕ್ಕೆ ಬಂದವನು ಅಂದನು.

### ಯೇಸುವಿನ ಶಿಷ್ಯರು ಉಪವಾಸ ಮಾಡದ್ದಕ್ಕೆ ಶಾಸ್ತ್ರಿಗಳು ಆತನ ಮೇಲೆ ಆಕ್ಷೇಪಣೆ ಮಾಡಿದ್ದು

(ಮತ್ತಾ ೯. ೧೪-೧೭ ಲೂಕ ೫. ೩೩-೩೮ )

೧೮ ಇದಲ್ಲದೆ ಯೋಹಾನನ ಶಿಷ್ಯರೂ ಫರಿಸಾಯರೂ ಉಪವಾಸವಾಗಿದ್ದರು. ಅವರು ಆತನ
ಬಳಿಗೆ ಬಂದು ಯೋಹಾನನ ಶಿಷ್ಯರೂ ಫರಿಸಾಯರೂ ಶಿಷ್ಯರು ಉಪವಾಸಮಾಡುತ್ತಾರಲ್ಲಾ ? ನಿನ್ನ
ಶಿಷ್ಯರು ಯಾಕೆ ಉಪವಾಸ ಮಾಡುವದಿಲ್ಲ? ೧೯ ಎಂದು ಕೇಳಲು ಯೇಸು ಅವರಿಗೆ ಮದುವೆಯ
ಜನರು ತಮ್ಮ ಸಂಗಡ ಮದಲಿಗನು ಇರುವಲ್ಲಿ ಉಪವಾಸಮಾಡುವದುಂಟೇ? ಮದಲಿಂಗನು ತಮ್ಮ

ಸಂಗಡ ಇರುವ ತನಕ ಅವರು ಉಪವಾಸಮಾಡಲಾಗದು. ೨೦ ಆದರೆ ಮದಲಿಂಗನನ್ನು ಅವರ
ಬಳಿಯಿಂದ ತೆಗೆದುಕೊಂಡುಹೋಗುವ ಕಾಲ ಬರುತ್ತದೆ. ಆ ಕಾಲದಲ್ಲಿ ಉಪವಾಸ ಮಾಡುವರು.
೨೧ ಯಾರೂ ಹೊಸ ಬಟ್ಟೆಯ ತುಂಡನ್ನು ಹಳೆಉ ವಸ್ತ್ರಕ್ಕೆ ತ್ಯಾಪೆ ಹಚ್ಚುವದಿಲ್ಲ. ಹಚ್ಚಿದರೆ
ಆ ಹೊಸ ತ್ಯಾಪೆಯು ಗಳೆಯ ವಸ್ತ್ರವನ್ನು ಹೆಂಜುವದರಿಂದ ಹರಕು ಹೆಚ್ಚಾಗುತ್ತದೆ ೨೨ ಮತ್ತು
ಹಳೆಯ ಬುದ್ದಲಿಗಳಲ್ಲಿ ಹೊಸ ದ್ರಾಕ್ಷಾರಸವನ್ನು ಯಾರೂ ಹಾಕಿಡುವದಿಲ್ಲ,ಇಟ್ಟರೆ ಆ ದ್ರಾಕ್ಷಾರಸವು
ಬುದ್ದಲಿಗಳನ್ನು ಒಡೆದು ದ್ರಾಕ್ಷಾರಸವು ಬುದ್ದಲಿಗಳು ಎರಡೂ ಕೆಟ್ಟುಹೋಗುವವು. ಆದರೆ ಹೊಸ
ದ್ರಾಕ್ಷ್ಯಾರಸವನ್ನು ಹೊಸ ಬುದ್ದಲಿಗಳಲ್ಲಿ ಹಾಕಿಡತಕ್ಕದ್ದು. ಎಂದು ಹೇಳಿದನು.

### ಯೇಸುವೂ ಆತನ ಶಿಷ್ಯರೂ ಸಬ್ಬತದಿನವನ್ನು ಅಲಕ್ಷಮಾಡುತ್ತಾರೆಂದು ಶಾಸ್ತ್ರಿಗಳು ಆತನ ಮೇಲೆ ಆಕ್ಷೇಪಣೆ ಮಾಡಿದ್ದು

(ಮತ್ತಾ ೧೨.೧-೧೪ ಲೂಕ ೬. ೧-೧೧)

೨೩ ಯೇಸು ಸಬ್ಬತದಿನದಲ್ಲಿ ಪೈರಿನ ಹೊಲಗಳನ್ನು ಹಾದುಹೋಗುತ್ತಿರುವಾಗ ಆತನ
ಶಿಷ್ಯರು ನಡೆಯುತ್ತಾ ತೆನೆಗಳನ್ನು ಮುರುಕೊಂಡರು. ೨೪ ಫರಿಸಾಯರು ಆತನನ್ನು – ನೋಡು
ಇವರು ಸಬ್ಬತದಿನದಲ್ಲಿ ಮಾಡಬಾರದ ಕೆಲಸವನ್ನು ಯಾಕೆ ಮಾಡುತ್ತಾರೆ ಎಂದು ಕೇಳಿದರು.
೨೫ ಆತನುಅವರಿಗೆ – ದಾವೀದನು ತಾನೂ ತನ್ನ ಸಂಗಡ ಇದ್ದವರೂ ಕೊರತೆಯುಳ್ಳವರಾಗಿ ಹಸಿದಾಗ
ಏನು ಮಾಡಿದನೆಂಬದನ್ನು ನೀವು ಎಂದಾದರೂ ಓದಲಿಲ್ಲವೋ? ೨೬ ಅವನು ಮಹಾಯಾಜಕನಾದ
ಅಬಿಯಾತರನ ಕಾಲದಲ್ಲಿ ದೇವಮಂದಿರದೊಳಕ್ಕೆ ಹೋಗಿ ಯಾಜಕರು ಹೊರತು ಮತ್ತಾರೂ
ತಿನ್ನಬಾರದ ನೈವೇದ್ಯದ ರೊಟ್ಟಿಗಳನ್ನು ತಾನು ತಿಂದು ತನ್ನ ಸಂಗಡ ಇದ್ದವರಿಗೂ ಕೊಟ್ಟನಲ್ಲಾ?
ಎಂದು ಹೇಳಿದನು. ೨೭ ಮತ್ತು ಆತನು ಸಬ್ಬತದಿನವು ಮನುಷ್ಯರಿಗೋಸ್ಕರ ಉಂಟಾಯಿತೇ
ಹೊರತು ಮನುಷ್ಯರು ಸಬ್ಬತದಿನಕ್ಕೋಸ್ಕರ ಉಂಟಾಗಲಿಲ್ಲ. ೨೮ ಹೀಗಿರಲಾಗಿ ಮನುಷ್ಯಕುಮಾರನು
ಸಬ್ಬತದಿನಕ್ಕೂ ಒಡೆಯನಾಗಿದಶದಾನೆ ಅಂದನು.

೩ ೧ ಇನ್ನೊಂದು ಸಮಯದಲ್ಲಿ ಯೇಸು ಸಭಾಮಂದಿರಕ್ಕೆ ಹೋದಾಗ ಅಲ್ಲಿ
ಕೈಬತ್ತಿಹೋದವನೊಬ್ಬನಿದ್ದನು. ೨ ಅವರು ಆತನ ಮೇಲೆ ತಪ್ಪುಹೊರಿಸಬೇಕೆಂದು
ಆಲೋಚಿಸಿ ಸಬ್ಬತ್‍ದಿನದಲ್ಲಿ ಅವಣ್ನು ಸ್ವಸ್ಥಮಾಡುವನೋ ಏನೋ ಎಂದು ಹೊಂಚಿ
ನೋಡುತ್ತಾ ಇದ್ದರು. ೩ ಆತನು ಕೈಬತ್ತಿದ್ದವನಿಗೆ– ಎದ್ದು ನಡುವೆ ಬಾ ಎಂದು ಹೇಳಿ ಅವರಿಗೆ–
೪ ಸಬ್ಬತ್‍ದಿನದಲ್ಲಿ ಯಾವದನ್ನು ಮಾಡುವದು ನ್ಯಾಯ? ಮೇಲನ್ನು ಮಾಡುವದೋ, ಕೇಡನ್ನು
ಮಾಡುವದೋ? ಪ್ರಾಣವನ್ನು ಉಳಿಸುವದೋ, ತೆಗೆಯುವದೋ? ಎಂದು ಹೇಳಲು ಅವರು
ಸುಮ್ಮನಿದ್ದರು. ೫ ಆಗ ಆತನು ಅವರ ಮನಸ್ಸು ಕಲ್ಲಾಗಿರುವದನ್ನು ಕಂಡು ದುಃಖಪಟ್ಟು ಕೋಪದಿಂದ
ಸುತ್ತಲೂ ಅವರನ್ನು ನೋಡಿ ಆ ಮನುಷ್ಯನಿಗೆ–ನಿನ್ನ ಕೈಚಾಚು ಎಂದು ಹೇಳಿದನು. ೬ ಅವನು
ಚಾಚಿದನು; ಕೈ ವಾಸಿಯಾಯಿತು. ಫರಿಸಾಯರು ಹೊರಕ್ಕೆ ಹೋಗಿ ಕೂಡಲೆ ಹೆರೋದ್ಯರನ್ನು
ಕೂಡಿಕೊಂಡು ಇವಣ್ನು ಯಾವ ಉಪಾಯದಿಂದ ಕೊಲಲ್ಲೋಣ ಎಂದು ಆತನಿಗೆ ವಿರೋಧವಾಗಿ
ಆಲೋಚನೆ ಮಾಡಿಕೊಂಡರು.

### ಯೇಸು ವಿಂಗಡವಗಿ ಹೋಗಿ ಹನ್ನೆರಡು ಮಂದಿ ಅಪೊಸ್ತಲರನ್ನು ನೇಮಿಸಿದ್ದು.

(ಮತ್ತಾ. ೧೦.೧–೪; ಲೂಕ. ೬.೧೨—೧೯)

೭ ಯೇಸು ತನ್ನ ಶಿಷ್ಯರ ಕೂಡ ಆ ಸ್ಥಳವನ್ನು ಬಿಟ್ಟು ಸಮುದ್ರದ ಬಳಿಗೆ ಹೋದನು.
ಗಲಿಲಾಯದಿಂದ ಬಹುಜನರು ಆತನ ಹಿಂದೆ ಹೋದರು. ೮ ಇದಲ್ಲದೆ ಆತನು
ಇಂಥಿಂಥ ಕೆಲಸಗಳನ್ನು ಮಾಡುತ್ತಾನೆಂದು ಕೇಳಿ ಬಹುಜನರು ಯೂದಾಯದಿಂದಲೂ
ಯೆರೂಸಲೇಮಿನಿಂದಲೂ ಇದೂಮಾಯದಿಂದಲೂ ಯೊರ್ದನ್‍ಹೊಳೆಯ ಆಚೆಯಿಂದಲೂ
ತೂರ್ ಸೀದೋನ್ ಪಟ್ಟಣಗಳ ಸುತ್ತಲಿನಿಂದಲೂ ಆತನ ಬಳಿಗೆ ಬಂದರು. ೯ ಜನರು
ಗುಂಪಾಗಿದ್ದದರಿಂದ ಮೈಮೇಲೆ ಬಿದ್ದು ನೂಕಾರೆಂದು ಆತನು ತನಗೆ ಒಂದು ದೋಣಿಯು
ಸಿದ್ಧವಾಗಿರಲಿ ಎಂಬದಾಗಿ ಶಿಷ್ಯರಿಗೆ ಹೇಳಿದನು. ೧೦ ಯಾಕಂದರೆ ಆತನು ಅನೇಕರನ್ನು
ಸ್ವಸ್ಥಮಾಡಿದ್ದದರಿಂದ ರೋಗಪೀಡಿತರಾಗಿದ್ದವರೆಲ್ಲರೂ ಆತನನ್ನು ಮುಟ್ಟಬೇಕೆಂದು ಮೇಲೆ
ಬೀಳುತ್ತಿದ್ದರು. ೧೧ ಮತ್ತು ದೆವ್ವಗಳು ಆತನನ್ನು ಕಂಡಾಗೆಲ್ಲಾ ಆತನ ಪಾದಕ್ಕೆ ಬಿದ್ದು – ನೀನು
ದೇವಕುಮಾರನೆಂದು ಕೂಗುತ್ತಿದ್ದವು. ೧೨ ಆದರೆ ಆತನು ತಾನು ಇಂಥವನೆಂಬದಾಗಿ ಯಾರಿಗೂ
ಪ್ರಕಟಿಸಬಾರದೆಂದು ಅವರಿಗೆ ಬಹು ಖಂಡಿತವಾಗಿ ಹೇಳಿದನು.

೧೩ ಆ ಮೇಲೆ ಯೇಸು ಬೆಟ್ಟವನ್ನು ಹತ್ತಿ ತನಗೆ ಬೇಕಾದವರನ್ನು ಹತ್ತರಕ್ಕೆ ಕರೆಯಲು
ಅವರು ಆತನ ಬಳಿಗೆ ಬಂದರು. ೧೪ ಆತನು ಹನ್ನೆರಡು ಮಂದಿಯನ್ನು ಆರಿಸಿ ಅವರು ತನ್ನ
ಸಂಗಡ ಇರಬೇಕೆಂತಲೂ ೧೫ ದೆವ್ವಗಳನ್ನು ಬಿಡಿಸುವ ಅಧಿಕಾರವುಳ್ಳವರಾಗಿ ಸುವಾರ್ತೆಯನ್ನು
ಸಾರುವದಕ್ಕೆ ತಾನು ಅವರನ್ನು ಕಳುಹಿಸುವೆನೆಂತಲೂ ಆ ಹನ್ನೆರಡು ಮಂದಿಯನ್ನು ಆರಿಸಿ
ನೇಮಿಸಿದನು. ೧೬ ಸೀಮೋನನೆಂಬವನಿಗೆ ಪೇತ್ರನೆಂದು ಹೆಸರನ್ನು ಇಟ್ಟನು. ೧೭ ಜೆಬೆದಾಯನ
ಮಗನಾದ ಯಾಕೋಬನಿಗೂ ಯಾಕೋಬನ ತಮ್ಮನಾದ ಯೋಹಾನನಿಗೂ ಬೋವನೆರ್ಗೆಸ್
ಅಂದರೆ ಗುಡುಗಿನ ಮರಿಗಳು ಎಂದು ಹೆಸರಿಟ್ಟನು. ೧೮ ಉಳಿದವರು ಯಾರಂದರೆ, ಅಂದ್ರೆಯ,
ಫಿಲಿಪ್ಪ, ಬಾರ್ತೊಲೊಮಾಯ, ಮತ್ತಾಯ, ತೋಮ, ಅಲ್ಫಾಯನ ಮಗನಾದ ಯಾಕೋಬ,
ತದ್ದಾಯ, ಮತಾಭಿಮಾನಿ ಎಂಧು ಹೆಸರುಗೊಂಡ ಸೀಮೋನ, ೧೯ ಯೇಸುವನ್ನು ಹಿಡುಕೊಟ್ಟ
ಇಸ್ಕರಿಯೋತ ಯೂದ, ಇವರೇ.

### ಯೇಸುವಿನ ವೈರಿಗಳು ಆತಣ್ನು ದೂಷಿಸಿದ್ದು; ಆತನ ಸ್ವಂತ ಜನರು ಆತನ ವಿಷಯವಾಗಿ ಅನುಮಾನಪಟ್ಟದ್ದು.

(ಮತ್ತಾ. ೧೨.೨೨-೩೨; ೪೬-೫೦; ಲೂಕ. ೧೧.೧೪-೨೨; ೮.೧೯—೨೧)

೨೦ ಆತನು ಮನೆಯೊಳಗೆ ಬಂದಾಗ ಜನರು ತಿರಿಗಿ ನೆರೆದದ್ದರಿಂದ ಊಟಕ್ಕೂ
ಅವಕಾಶವಾಗಲಿಲ್ಲ. ೨೧ ಇದನ್ನು ಕೇಳಿ ಆತನ ಬಂಧುಗಳು ಅವನಿಗೆ ಹುಚ್ಚು ಹಿಡಿದದೆ ಎಂದು
ಹೇಳಿ ಆತನನ್ನು ಹಿಡಿಯುವದಕ್ಕೆ ಹೊರಟರು. ೨೨ ಇದಲ್ಲದೆ ಯೆರೂಸಲೇಮಿನಿಂದ ಬಂದಿದ್ದ
ಶಾಸ್ತ್ರಿಗಳು-ಇವನನ್ನು ಬೆಲ್ಜೆಬೂಲನು ಹಿಡಿದಿದ್ದಾನೆಂತಲೂ ಇವನು ದೆವ್ವಗಳ ಒಡೆಯನ
ಸಹಾಯದಿಂದ ದೆವ್ವಗಳನ್ನು ಬಿಡಿಸುತ್ತಾನೆಂತಲೂ ಹೇಳುತ್ತಿದ್ದರು. ೨೩ ಆತನು ಅವರನ್ನು
ಹತ್ತರಕ್ಕೆ ಕರೆದು ಅವರಿಗೆ ಸಾಮ್ಯರೂಪವಾಗಿ ಹೇಳಿದ್ದೇನಂದರೆ-ಸೈತಾನನು ಸೈತಾನನನ್ನು
ಬಿಡಿಸುವದುಂಟೇ? ೨೪ ಒಂದು ರಾಜ್ಯದಲ್ಲಿ ಭೇದಹುಟ್ಟಿದರೆ ಆ ರಾಜ್ಯವು ಉಳಿಯಲಾರದು;
೨೫ ಒಂದು ಮನೆಯಲ್ಲಿ ಭೇದಹುಟ್ಟಿದರೆ ಆ ಮನೆಯು ನಿಲ್ಲಲಾರದು. ೨೬ ಅದರಂತೆ ಸೈತಾನನು
ತನಗೆ ವಿರೋಧವಾಗಿ ಎದ್ದು ತನ್ನಲ್ಲಿ ಭೇದಹುಟ್ಟಿಸಿಕೊಂಡರೆ ಅವನು ನಿಲ್ಲಲಾರದೆ ನಾಶವಾಗಿ
ಹೋಗುವನು. ೨೭ ಅದಲ್ಲದೆ ಒಬ್ಬನು ಮೊದಲು ಬಲಿಷ್ಠನನ್ನು ಕಟ್ಟಿಹಾಕದೆ ಆ ಬಲಿಷ್ಠನ
ಮನೆಯನ್ನು ಹೊಕ್ಕು ಅವನ ಸೊತ್ತನ್ನು ಸುಲುಕೊಳ್ಳುವದಕ್ಕಾಗುವದಿಲ್ಲ; ಕಟ್ಟಿಹಾಕಿದ ಮೇಲೆ
ಅವನ ಮನೆಯನ್ನು ಸುಲುಕೊಂಡಾನು. ೨೮-೨೯ ಇದಲ್ಲದೆ ಅವರು-ಇವನಿಗೆ ದೆವ್ವ ಹಿಡಿದದೆ
ಎಂದು ಹೇಳಿದ್ದರಿಂದ ಆತನು ಅವರಿಗೆ-ನಿಮಗೆ ಸತ್ಯವಾಗಿ ಹೇಳುತ್ತೇನೆ, ಮನುಷ್ಯರು
ಎಷ್ಟು ದೂಷಿಸಿದಾಗ್ಯೂ ಅವರು ಮಾಡುವ ಎಲ್ಲಾ ಪಾಪಗಳಿಗೂ ದೂಷಣೆಗಳಿಗೂ ಕ್ಷಮಾಪಣೆ
ಉಂಟಾಗುವದು, ೩೦ ಆದರೆ ಪವಿತ್ರಾತ್ಮನನ್ನು ದೂಷಿಸಿದವನು ಎಂದಿಗೂ ಕ್ಷಮಾಪಣೆ ಹೊಂದನು;
ಅವನು ಶಾಶ್ವತ ಪಾಪದೊಳಗೆ ಸೇರಿದವನಾದನು ಎಂದು ಹೇಳಿದನು.
೩೧ ಜನರು ಆತನ ಸುತ್ತಲು ಕೂತುಕೊಂಡಿದ್ದಾಗ ಆತನ ತಾಯಿಯೂ ತಮ್ಮಂದಿರೂ ಬಂದು ಹೊರಗೆ
ನಿಂತುಕೊಂಡು ಆತಣ್ನು ಕರೇ ಕಳುಹಿಸಿದರು. ೩೨ ಆ ಜನರು ಆತನಿಗೆ-ನಿನ್ನ ತಾಯಿಯೂ ನಿನ್ನ
ತಮ್ಮಂದಿರೂ ನಿನ್ನನ್ನು ಹುಡುಕಿಕೊಂಡು ಬಂದು ಹೊರಗೆ ನಿಂತಿರುತ್ತಾರೆ ನೋಡು ಎಂದು
ಹೇಳಿದ್ದಕ್ಕೆ ೩೩ ಆತನು ಅವರಿಗೆ – ನನಗೆ ತಾಯಿಯೂ ತಮ್ಮಂದಿರೂ ಯಾರು? ಎಂದು ಹೇಳಿ
ತನ್ನ ಸುತ್ತಲು ಕೂತಿದ್ದವರನ್ನು ನೋಡಿ – ೩೪ ಇಗೋ, ನನ್ನ ತಾಯಿ, ನನ್ನ ತಮ್ಮಂದಿರು. ೩೫ ದೇವರ
ಚಿತ್ತದಂತೆ ನಡೆಯುವವನೇ ನನಗೆ ತಮ್ಮನೂ ತಂಗಿಇಲೂ ತಾಯಿಯೂ ಆಗಬೇಕು ಅಂದನು.

### ದೇವರ ರಾಜ್ಯವನ್ನು ಕುರಿತ ಸಾಮ್ಯಗಳು.

ಮತ್ತಾ. ೧೩.೧-೩೪; ಲೂಕ. ೮. ೪-೧೮; ೧೩. ೧೮, ೧೯.)

೪ ೧ ಆತನು ತಿರಿಗಿ ಸಮುದ್ರದ ದಡದಲ್ಲಿ ಉಪದೇಶ ಮಾಡುತ್ತಿದದನು. ಬಹುಜನರು ಆತನ
ಬಳಿಗೆ ಕೂಡಿ ಬಂದದ್ದರಿಂದ ಆತನು ಸಮುದ್ರದಲ್ಲಿದ್ದ ದೋಣಿಹತ್ತಿ ಕೂತುಕೊಂಡನು; ಆ
ಜನರೆಲ್ಲರು ಸಮುದ್ರದ ಹತ್ತರ ನೆಲದ ಮೇಲೆ ಇದ್ದರು. ೨ ಆಗ ಆತನು ಅವರಿಗೆ ಸಾಮ್ಯರೂಪವಾಗಿ
ಅನೇಕ ಸಂಗತಿಗಳನ್ನು ಉಪದೇಶಮಾಡಿದನು. ಆ ಉಪದೇಶದಲ್ಲಿ ಅವರಿಗೆ ಹೇಳಿದ್ದೇನಂದರೆ-
೩ ಕೇಳಿರಿ! ಬಿತ್ತುವವನು ಬಿತ್ತುವದಕ್ಕೆ ಹೊರಟನು. ೪ ಬಿತ್ತುವಾಗ ಕೆಲವು ಬೀಜ ದಾರಿಯ
ಮಗ್ಗುಲಲ್ಲಿ ಬಿದ್ದವು; ಹಕ್ಕಿಗಳು ಬಂದು ಅವುಗಳನ್ನು ತಿಂದುಬಿಟ್ಟವು. ೫ ಬೇರೆ ಕೆಲವು ಬೀಜ ಬಹಳ
ಮಣ್ಣಿಲ್ಲದ ಬಂಡೆಯ ನೆಲದಲ್ಲಿ ಬಿದ್ದವು; ಅಲ್ಲಿ ಮಣ್ಣು ತೆಳ್ಳಗಿದ್ದದರಿಂದ ಅವು ಬೇಗ ಮೊಳೆತವು;

೬ ಆದರೆ ಬಿಸಲೇರಿದಾಗ ಬಾಡಿ ಬೇರಿಲ್ಲದಕಾರಣ ಒಣಗಿಹೋದವು. ೭ ಮತ್ತೆ ಕೆಲವು ಬೀಜ
ಮುಳ್ಳುಗಿಡಗಳಲ್ಲಿ ಬಿದ್ದವು; ಮುಳ್ಳುಗಿಡಗಳು ಬೆಳೆದು ಅವುಗಳನ್ನು ಅಡಗಿಸಿಬಿಟ್ಟದ್ದರಿಂದ ಅವು
ಫಲಕೊಡಲಿಲ್ಲ. ೮ ಇನ್ನು ಕೆಲವು ಬೀಜ ಒಳ್ಳೆಯ ನೆಲದಲ್ಲಿ ಬಿದ್ದು ಹುಟ್ಟಿ ಬೆಳೆಯುತ್ತಾ ಬಂದು
ಒಂದು ಮೂವತ್ತರಷ್ಟು, ೯ ಒಂದು ಅರುವತ್ತರಷ್ಟು, ಒಂದು ನೂರರಷ್ಟು ಫಲವನ್ನು ಕೊಟ್ಟವು ಎಂದು
ಹೇಳಿ–ಕೇಳುವದಕ್ಕೆ ಕಿವಿಯುಳ್ಳವನು ಕೇಳಲಿ ಅಂದನು.
೧೦ ಆತನು ಒಬ್ಬನೇ ಇದ್ದಾಗ ಆತನ ಹತ್ತಿರ ಇದ್ದವರು ಹನ್ನೆರಡು ಮಂದಿ ಶಿಷ್ಯರ ಕೂಡ ಆ ಸಾಮ್ಯಗಳ
ವಿಷಯದಲ್ಲಿ ಆತನನ್ನು ಕೇಳಿದರು. ೧೧ ಆತನು ಅವರಿಗೆ–ದೇವರ ರಾಜ್ಯದ ಗುಟ್ಟು ನಿಮಗೇ
ಕೊಟ್ಟಿದೆ; ಹೊರಗಿನವರಿಗೆ ಎಲ್ಲವೂ ಸಾಮ್ಯದ ಮರೆಯಲ್ಲಿವೆ.
೧೨ ಅವರು ಕಣ್ಣಿದ್ದು ನೋಡಿದರೂ ಕಾಣಬಾರದು, ಕಿವಿಯಿದ್ದು ಕೇಳಿದರೂ ತಿಳುಕೊಳ್ಳಬಾರದು,
ಹಾಗೆ ಕಂಡು ತಿಳುಕೊಂಡರೆ ಅವರು ದೇವರ ಕಡೆಗೆ ತಿರುಗಿಕೊಂಡು ಪಾಪಕ್ಷಮೆಯನ್ನು
ಹೊಂದಾರು. /ಎಂದೇ ಮರೆಮಾಡಲಾಗಿದೆ. ೧೩ ಆ ಮೇಲೇ ಆತನು ಅವರಿಗೆ
ಹೇಳಿದ್ದೇನಂದರೆ–ಈ ಸಾಮ್ಯದ ಅರ್ಥ ನಿಮಗೆ ಗೊತ್ತಾಗಲಿಲ್ಲವೋ? ಹಾಗಾದರೆ ನನ್ನ
ಎಲ್ಲಾ ಸಾಮ್ಯಗಳನ್ನು ಹೇಗೆ ತಿಳುಕೊಂಡೀರಿ? ೧೪ ಆ ಬಿತ್ತುವವನು ವಾಕ್ಯವೆಂಬ ಬೀಜವನ್ನು
ಬಿತ್ತುತ್ತಾನೆ. ೧೫ ಕೆಲವರು ವಾಕ್ಯವನ್ನು ಕೇಳೀದ ಕೂಡಲೆ ಸೈತಾನನು ಬಂದು ಅವರಲ್ಲಿ ಬಿತ್ತಿದ್ದ
ವಾಕ್ಯವನ್ನು ತೆಗೆದುಬಿಡುತ್ತಾನೆ. ಇವರೇ ವಾಕ್ಯವನ್ನು ಬಿತ್ತಲ್ಪಟ್ಟ ದಾರಿಯ ಮಗ್ಗುಲಾಗಿರುವವರು.
೧೬-೧೭ ಅದೇ ಪ್ರಕಾರ ಬೇರೆ ಕೆಲವರು ವಾಕ್ಯವನ್ನು ಕೇಳೀದ ಕೂಡಲೆ ಸಂತೋಷದಿಂದ ಅದನ್ನು
ಸ್ವೀಕರಿಸುತ್ತಾರೆ; ತಮಗೆ ಬೇರಿಲ್ಲದ ಕಾರಣ ಇವರು ಸ್ವಲ್ಪ ಕಾಲ ಮಾತ್ರವೇ ಇದ್ದು ಬಳಿಕ ಆ ವಾಕ್ಯದ
ನಿಮಿತ್ತವಾಗಿ ಸಂಕಟವಾಗಲಿ ಹಿಂಸೆಯಾಗಲಿ ಬಂದರೆ ಬೇಗ ಎಡವಿಬೀಳುತ್ತಾರೆ; ಇವರೇ
ಬೀಜಬಿದ್ದ ಬಂಡೆಯ ನೆಲವಾಗಿರುವವರು. ೧೮-೧೯ ಇನ್ನು ಕೆಲವರು ವಾಕ್ಯವನ್ನು ಕೇಳಿದಾಗ್ಯೂ
ಪ್ರಪಂಚದ ಚಿಂತೆಗಳೂ ಐಶ್ವರ್ಯದಿಂದುಂಟಾಗುವ ಮೋಸವೂ ಇತರ ವಿಷಯಗಳ ಮೇಲಣ
ಆಶೆಗಳೂ ಒಳಗೆ ಸೇರಿ ಆ ವಾಕ್ಯವನ್ನು ಅಡಗಿಸಿಬಿಡುವದರಿಂದ ಫಲವನ್ನು ಕೊಡದೆ ಇರುತ್ತಾರೆ;
ಇವರೇ ಮುಳ್ಳುಗಿಡಗಳಲ್ಲಿ ಬೀಜಬಿದ್ದ ನೆಲವಾಗಿರುವವರು. ೨೦ ಮತ್ತೆ ಕೆಲವರು ವಾಕ್ಯವನ್ನು
ಕೇಳಿ ಕೈಕೊಂಡು ಮೂವತ್ತರಷ್ಟಾಗಲಿ ಅರುವತ್ತರಷ್ಟಾಗಲಿ ನೂರರಷ್ಟಾಗಲಿ ಫಲವನ್ನು ಕೊಡುತ್ತಾರೆ;
ಇವರೇ ಬೀಜಬಿದ್ದ ಒಳ್ಳೆಯ ನೆಲವಾಗಿರುವವರು ಅಂದನು.
೨೧ ಇದಲ್ಲದೆ ಆತನು ಅವರಿಗೆ–ದೀಪವನ್ನು ತಂದು ಕೊಳಗದೊಳಗಾಗಲಿ ಮಂಚದ
ಕೆಳಗಾಗಲಿ ಇಡುವದುಂಟೇ? ದೀಪಸ್ತಂಭದ ಮೇಲೆ ಇಡುತ್ತಾರಲ್ಲಾ? ೨೨ ಯಾವದಾಗಲಿ
ಪ್ರಕಾಶಕ್ಕೆ ಬರಬೇಕಕೇ ಹೊರತು ರಹಸ್ಯವಾಗಿರುವದಿಲ್ಲ; ಯಾವದಾಗಲಿ ಬೈಲಿಗೆ ಬರಬೇಕಕೇ
ಹೊರತು ಗುಟ್ಟಾಗಿರುವದಿಲ್ಲ. ೨೩ ಕೇಳುವದಕ್ಕೆ ಕಿವಿಯುಳ್ಳವನು ಕೇಳಲಿ ಎಂದು ಹೇಳಿದನು.
೨೪ ಮತ್ತು ಆತನು ಅವರಿಗೆ–ನೀವು ಕಿವಿಗೊಡುವ ವಿಷಯದಲ್ಲಿ ಎಚ್ಚರಿಕೆ. ನೀವು ಅಳೆಯುವ
ಅಳತೆಯಿಂದಲೇ ನಿಮಗೂ ಅಳೆಯುವರು; ಇನ್ನೂ ಕೂಡಿಸಿಕೊಡುವರು. ೨೫ ಇದ್ದವನಿಗೆ
ಕೊಡಲ್ಪಡುವದು; ಇಲ್ಲದವನ ಕಡೆಯಿಂದ ಇದ್ದದ್ದೂ ತೆಗೆಯಲ್ಪಡುವದು ಎಂದು ಹೇಳಿದನು.
೨೬ ಇನ್ನೂ ಆತನು ಅವರಿಗೆ ಹೇಳಿದ್ದು–ಒಬ್ಬನು ಭೂಮಿಯಲ್ಲಿ ಬೀಜವನ್ನು ಹಾಕಿ ರಾತ್ರಿ
ಮಲಗುತ್ತಾ ಹಗಲು ಎದ್ದಿರುತ್ತಾ ಇರಲು ೨೭ ಅವನಿಗೆ ತಿಳಿಯದ ರೀತಿಯಲ್ಲಿ ಆ ಬೀಜವು ಹುಟ್ಟಿ
ಬೆಳೆಯುವದು. ಇದರಂತೆ ದೇವರ ರಾಜ್ಯ. ೨೮ ಭೂಮಿಯು ಮೊದಲು ಗರಿಯನ್ನೂ, ಆ ಮೇಲೆ
ಹೊಡೆಯನ್ನೂ, ತರುವಾಯ ತೆನೆಯಲ್ಲಿ ತುಂಬಾ ಕಾಳನ್ನೂ ತನ್ನಷ್ಟಕ್ಕೆ ತಾನೇ ಹುಟ್ಟಿಸುತ್ತದೆ.
೨೯ ಆದರೆ ಫಲಮಾಗಿದ ಕೂಡಲೆ ಅವನು ಸುಗ್ಗಿಕಾಲ ಬಂತೆಂದು ಕೊಯಿಸುತ್ತಾನೆ ಅಂದನು.
೩೦ ಇನ್ನೂ ಆತನು ಹೇಳೀದ್ದು – ದೇವರ ರಾಜ್ಯವನ್ನು ಯಾವದಕ್ಕೆ ಹೋಲಿಸೋಣ? ೩೧ ಅದು
ಸಾಸಿವೆಕಾಳಿನಂತಿರುತ್ತದೆ. ಭೂಮಿಯಲ್ಲಿ ಬಿತ್ತುವಾಗ ಅದು ಭೂಮಿಯಲ್ಲಿರುವ ಎಲ್ಲಾ
ಬೀಜಗಳಿಗಿಂತಲೂ ಸಣ್ಣದಾಗಿದೆ. ೩೨ ಬಿತ್ತಿದ ಮೇಲೆ ಅದು ಬೆಳೆದು ಎಲ್ಲಾ ಕಾಯಿಪಲ್ಯದ
ಗಿಡಗಳಿಗಿಂತ ದೊಡ್ಡದಾಗಿ ದೊಡ್ಡದೊಡ್ಡ ಕೊಂಬೆಗಳನ್ನು ಬಿಡುವದರಿಂದ ಆಕಾಶದಲ್ಲಿ
ಹಾರಾಡುವ ಹಕ್ಕಿಗಳು ಅದರ ನೆರಳಿನಲ್ಲಿ ವಾಸಮಾಡುವದಕ್ಕಾಗುತ್ತದೆ ಅಂದನು.
೩೩ ಆತನು ಈ ತರದ ಅನೇಕ ಸಾಮ್ಯಗಳಿಂದ ಜನರ ಗ್ರಹಿಕೆಗೆ ತಕ್ಕ ಹಾಗೆ ದೇವರ ವಾಕ್ಯವನ್ನು
ಹೇಳುತ್ತಿದ್ದನು. ೩೪ ಆದರೆ ಪ್ರತ್ಯೇಕವಾಗಿ ಆತನು ತನ್ನ ಆಪ್ತಶಿಷ್ಯರಿಗೆ ಎಲ್ಲವನ್ನು ಬಿಚ್ಚಿಹೇಳಿದನು.

## ಯೇಸು ಸಮುದ್ರದ ಮೇಲಣ ಬಿರುಗಳಿಯನ್ನು ನಿಲ್ಲಿಸಿದ್ದು.

(ಮತ್ತಾ. ೮.೨೩–೨೭; ಲೂಕ ೮.೨೨-೨೫)

೩೫ ಆ ಹೊತ್ತು ಸಾಯಂಕಾಲವಾದಾಗ ಆತನು ಅವರಿಗೆ – ಆಚೇದಡಕ್ಕೆ ಹೋಗೋಣ ಎಂದು
ಹೇಳಲು ೩೬ ಅವರು ಆ ಜನರ ಗುಂಪನ್ನು ಬಿಟ್ಟು ಆತನನ್ನು ಅದೇ ದೋಣಿಯಲ್ಲಿ ಹಾಗೆಯೇ
ಕರಕೊಂಡುಹೋದರು. ೩೭ ಬೇರೆ ದೋಣಿಗಳೂ ಆತನ ಸಂಗಡ ಇದ್ದವು. ತರುವಾಯ ದೊಡ್ಡ
ಬಿರುಗಾಳಿ ಎದ್ದು ತೆರೆಗಳು ಆ ದೋಣಿಗೆ ಒಡೆದು ಒಳಗೆ ನುಗ್ಗಿದ್ದರಿಂದ ಆ ದೋಣಿ
ಆಗಲೇ ತುಂಬುವದಕ್ಕೆ ಬಂದಿತ್ತು. ೩೮ ಆತನು ದೋಣಿಯ ಹಿಂಭಾಗದಲ್ಲಿ ತಲೆಗಿಂಬನ್ನು ಒರಗಿ
ನಿದ್ದೆಮಾಡುತ್ತಿದ್ದನು. ಅವರು ಆತಣ್ನು ಎಬ್ಬಿಸಿ–ಗುರುವೇ, ನಾವು ಮುಳುಗಿಹೋಗುವದರಲ್ಲಿ
ನಿನಗೆ ಚಿಂತೆಯಿಲ್ಲವೇ ಎಂದು ಕೇಳಲು ೩೯ ಆತನು ಎದ್ದು ಗಾಳಿಯನ್ನು ಗದರಿಸಿ ಸಮುದ್ರಕ್ಕೆ –
ಸುಮ್ಮನಿರು, ಮೊರೆಯಬೇಡ ಎಂದು ಅಪ್ಪಣೆಕೊಟ್ಟನು. ಕೊಡುತ್ತಲೆ ಗಾಳಿ ನಿಂತುಹೋಗಿ ಎಲ್ಲಾ
ಶಾಂತವಾಯಿತು. ೪೦ ತರುವಾಯ ಆತನು ಅವರನ್ನು – ಯಾಕೆ ಧೈರ್ಯಗೆಡುತ್ತೀರಿ? ಇನ್ನೂ ನಿಮಗೆ
ನಂಬಿಕೆಯಿಲ್ಲವೇ ಎಂದು ಕೇಳಲು ೪೧ ಅವರು ಬಹು ಭಯಪಟ್ಟು – ಈತನು ಯಾರಿರಬಹುದು?
ಗಾಳಿಯೂ ಸಮುದ್ರವೂ ಸಹ ಈತನು ಹೇಳಿದ ಹಾಗೆ ಕೇಳುತ್ತವಲ್ಲಾ ಎಂದು ತಮ್ಮತಮ್ಮೊಳಗೆ
ಮಾತಾಡಿಕೊಂಡರು.

## ದೆವ್ವಗಳ ದಂಡಿನಿಂದ ಹಿಡಿಯಲ್ಪಟ್ಟವನನ್ನು ಕುರಿತದ್ದು.

(ಮತ್ತಾ. ೮.೨೮–೩೪; ಲೂಕ ೮.೨೬–೩೯)

೫ ೧ ಆ ಮೇಲೆ ಅವರು ಸಮುದ್ರದ ಆಚೇದಡಕ್ಕೆ ಗೆರಸೇನರ ಸೀಮೆಗೆ ಮುಟ್ಟಿದರು.
೨ ಅತನು ದೋಣಿಯಿಂದ ಇಳಿದುಬಂದ ಕೂಡಲೆ ದೆವ್ವಹಿಡಿದವನೊಬ್ಬನು ಸಮಾಧಿಯ
ಗವಿಗಳೊಳಗಿಂದ ಆತನೆದುರಿಗೆ ಬಂದನು. ೩-೪ ಅವನಿಗೆ ಸಮಾಧಿಯ ಗವಿಗಳೇ
ವಾಸಸ್ಥಳವಾಗಿದ್ದವು. ಅವನನ್ನು ಅನೇಕಸಾರಿ ಬೇಡಿಗಳಿಂದಲೂ ಸರಪಣಿಗಳಿಂದಲೂ
ಕಟ್ಟಿದ್ದರೂ ಅವನು ಸರಪಣಿಗಳನ್ನು ಕಿತ್ತು ಬೇಡಿಗಳನ್ನು ಮುರಿದು ಹಾಕಿದ್ದನು; ಅವನನ್ನು
ಇನ್ನು ಯಾರೂ ಸರಪಣಿಯಿಂದಾದರೂ ಕಟ್ಟಲಾರದೆ ಹೋದರು; ಅವನನ್ನು ಹತೋಟಿಗೆ
ತರುವದಕ್ಕೆ ಯಾರಿಂದಲೂ ಆಗಲಿಲ್ಲ. ೫ ಅವನು ನಿತ್ಯ ರಾತ್ರಿಹಗಲು ಸಮಾಧಿಯ ಗವಿಗಳಲ್ಲಿಯೂ
ಗುಡ್ಡಗಳಲ್ಲಿಯೂ ಆರ್ಭಟಿಸುತ್ತಾ ಕಲ್ಲುಗಳಿಂದ ತನ್ನನ್ನು ಕಡಿದುಕೊಳ್ಳುತ್ತಾ ಇದ್ದನು. ೬ ಅವನು
ಯೇಸುವನ್ನು ದೂರದಿಂದ ಕಂಡು ಓಡಿಬಂದು ಆತನಿಗೆ ಅಡ್ಡಬಿದ್ದು ಮಹಾಶಬ್ದದಿಂದ ಆರ್ಭಟಿಸಿ-
೭ ಯೇಸುವೇ, ಪರಾತ್ಪರನಾದ ದೇವರ ಮಗನೇ, ನನ್ನ ಗೊಡವೆ ನಿನಗೇಕೆ? ದೇವರಾಣೆ,
ನನ್ನನ್ನು ಕಾಡಬೇಡ ಎಂದು ಹೇಳಿದನು. ೮ ಯಾಕಂದರೆ–ಎಲ್ಲಾ ದೆವ್ವಾ, ಇವನನ್ನು ಬಿಟ್ಟುಹೋಗು
ಎಂದು ಯೇಸು ಹೇಳಿದ್ದನು. ೯ ಮತ್ತು–ನಿನ್ನ ಹೆಸರೇನೆಂದು ಅವನನ್ನು ಕೇಳಿದ್ದಕ್ಕೆ ಅವನು–ನನ್ನ
ಹೆಸರು ದಂಡು; ಯಾಕಂದರೆ ನಾವು ಬಹು ಮಂದಿ ಇದ್ದೇವೆ ಎಂದು ಹೇಳಿ– ೧೦ ನಮ್ಮನ್ನು ಈ
ಸೀಮೆಯಿಂದ ಹೊರಡಿಸಬೇಡವೆಂದು ಆತನನ್ನು ಬಹಳವಾಗಿ ಬೇಡಿಕೊಂಡನು. ೧೧ ಅಲ್ಲಿಯ
ಗುಡ್ಡದಲ್ಲಿ ಹಂದಿಗಳ ದೊಡ್ಡ ಹಿಂಡು ಮೇಯುತ್ತಿತ್ತು. ೧೨ ಆ ದೆವ್ವಗಳು–ಆ ಹಂದಿಗಳೊಳಗೆ
ಸೇರಿಕೊಳ್ಳುವದಕ್ಕೆ ನಮ್ಮನ್ನು ಕಳುಹಿಸಿಕೊಡು ಎಂದು ಬೇಡಿಕೊಂಡವು. ೧೩ ಆತನು–ಆಗಲಿ
ಎಂದು ಅವುಗಳಿಗೆ ಅಪ್ಪಣೆಕೊಡಲು ಆ ದೆವ್ವಗಳು ಹೊರಗೆ ಬಂದು ಹಂದಿಗಳೊಳಗೆ
ಹೊಕ್ಕವು; ಆ ಗುಂಪು ಓಡಿ ಕಡಿದಾದ ಸ್ಥಳದಿಂದ ಸಮುದ್ರದೊಳಗೆ ಬಿದ್ದು ಅಲ್ಲಿ ಉಸುರುಕಟ್ಟಿ
ಸತ್ತಿತು. ೧೪ ಅವುಗಳನ್ನು ಮೇಯಿಸುವವರು ಓಡಿಹೋಗಿ ಆ ಊರಲ್ಲಿಯೂ ಹಳ್ಳಿಗಳಲ್ಲಿಯೂ
ತಿಳಿಸಲು ಜನರು ನಡೆದ ಸಂಗತಿ ಏನೆಂದು ನೋಡುವದಕ್ಕೆ ಹೊರಟು ಯೇಸುವಿದ್ದಲ್ಲಿಗೆ
ಬಂದು ಆ ದೆವ್ವಹಿಡಿದಿದ್ದವನು, ೧೫ ಅಂದರೆ ದೆವ್ವಗಳ ದಂಡಿನಿಂದ ಹಿಡಿಯಲ್ಪಟ್ಟಿದ್ದವನು,
ಬಟ್ಟೆಗಳನ್ನು ಹಾಕಿಕೊಂಡು ಸ್ವಸ್ಥ ಬುದ್ಧಿಯಿಂದ ಕೂತಿರುವದನ್ನು ನೋಡಿ ಹೆದರಿದರು. ೧೬ ನಡೆದ
ಸಂಗತಿಯನ್ನು ನೋಡಿದ್ದವರು ಆ ದೆವ್ವಹಿಡಿದಿದ್ದವನಿಗೆ ಹೇಗೆಹೇಗಾಯಿತೆಂಬದನ್ನೂ
ಹಂದಿಗಳ ವಿಷಯವನ್ನೂ ಅವರಿಗೆ ವಿವರಿಸಲು ೧೭ ಅವರು ತಮ್ಮ ಸೀಮೆಯನ್ನು ಬಿಟ್ಟು
ಹೋಗಬೇಕೆಂದು ಯೇಸುವನ್ನು ಬೇಡಿಕೊಂಡರು. ೧೮ ಆತನು ದೋಣಿಯನ್ನು ಹತ್ತುವಾಗ
ಆ ದೆವ್ವಹಿಡಿದಿದ್ದವನು––ನಾನು ನಿನ್ನ ಬಳಿಯಲ್ಲಿಯೇ ಇರುತ್ತೇನೆಂದು ಆತನನ್ನು
ಬೇಡತೊಡಗಿದನು. ೧೯ ಆದರೆ ಆತನು ಅವನನ್ನು ಇರಗೊಡದೆ ಅವನಿಗೆ–ನೀನು ನಿನ್ನ
ಮನೆಗೂ ನಿನ್ನ ಜನರ ಬಳಿಗೂ ಹೋಗಿ ಸ್ವಾಮಿಯು ನಿನ್ನಲ್ಲಿ ಕರುಣೆಯಿಟ್ಟು ನಿನಗೆ ಎಂಥೆಂಥ

ಉಪಕಾರಗಳನ್ನು ಮಾಡಿದ್ದಾನೋ ಅದನ್ನು ಹೇಳು ಅಂದನು. ೨೦ ಅವನು ಹೊರಟುಹೋಗಿ
ಯೇಸು ತನಗೆ ಮಾಡಿದ ಉಪಕಾರಗಳನ್ನು ದೆಕಪೊಲಿ ಎಂಬ ಸೀಮೆಯಲ್ಲಿ ಸಾರುವದಕ್ಕೆ
ಪ್ರಾರಂಭಿಸಿದನು; ಎಲ್ಲರೂ ಆಶ್ಚರ್ಯಪಟ್ಟರು.

## ಯೇಸು ಸತ್ತಹುಡುಗಿಯನ್ನು ಬದುಕಿಸಿದ್ದು; ಮತ್ತು ಒಬ್ಬ ಸ್ತ್ರೀಯ ರಕ್ತಕುಸುಮರೋಗವನ್ನು ವಾಸಿಮಾಡಿದ್ದು.

(ಮತ್ತಾ. ೯.೧೮—೨೬; ಲೂಕ ೮. ೪೦—೫೬)

೨೧ ಯೇಸು ತಿರಿಗಿ ದೋಣಿಯಲ್ಲಿ ಈಚೇದಡಕ್ಎಕ ಬಂದಾಗ ಉನರು ಬಹು ದೊಡ್ಡ
ಗುಂಪಾಗಿ ಆತನ ಬಳಿಗೆ ಬಂದರು; ಆತನು ಸಮುದ್ರದ ದಡದಲ್ಲಿದ್ದನು. ೨೨ ಆಗ ಸಭಾಮಂದಿರದ
ಅಧಿಕಾರಿಗಳಲ್ಲಿ ಒಬ್ಬನಾದ ಯಾಯೀರನೆಂಬವನು ಬಂದು ಯೇಸುವನ್ನು ಕಂಡು ಆತನ
ಪಾದಗಳಿಗೆ ಬಿದ್ದು– ೨೩ ನನ್ನ ಚಿಕ್ಕ ಮಗಳು ಈಗ ಸಾಯುತ್ತಾಳೆ; ಆಕೆಯು ವಾಸಿಯಾಗಿ
ಬದುಕಿಕೊಳ್ಳುವಂತೆ ನೀನು ಬಂದು ಆಕೆಯ ಮೇಲೆ ಕೈಯಿಡಬೇಕು ಎಂದು ಆತನನ್ನು
ಬಹಳವಾಗಿ ಬೇಡಿಕೊಂಡನು. ೨೪ ಆತನು ಅವನ ಸಂಗಡ ಹೋದನು; ಮತ್ತು ಬಹು ಜನರು ಆತನನ್ನು
ನೂಕಿಕೊಂಡು ಹಿಂದೆ ಹೋದರು.
೨೫ ಆಗ ಹನ್ನೆರಡು ವರುಷದಿಂದ ರಕ್ತಕುಸುಮರೋಗವಿದ್ದ ಒಬ್ಬ ಹೆಂಗಸು ಬಂದಳು. ೨೬ ಆಕೆಯು
ಅನೇಕ ವೈದ್ಯರಿಂದ ಬಹು ಕಷ್ಟವನ್ನು ಅನುಭವಿಸಿ ಕೈಯಲ್ಲಿದ್ದದ್ದನ್ನೆಲ್ಲಾ ಕಳಕೊಂಡರೂ
ರೋಗವು ಹೆಚ್ಚುತ್ತಾ ಬಂದದ್ದೇ ಹೊರತು ಮತ್ತೇನು ಪ್ರಯೋಜನವನ್ನೂ ಹೊಂದಿರಲಿಲ್ಲ.
೨೭-೨೮ ಆ ಹೆಂಗಸು ಯೇಸುವಿನ ಸಮಾಚಾರವನ್ನು ಕೇಳಿ–ನಾನು ಆತನ ಉಡುಪನ್ನು ಮುಟ್ಟಿದರೆ
ಸಾಕು, ನೆಟ್ಟಗಾಗುವೆನು ಎಂದು ಆಲೋಚಿಸಿ ೨೯ ಗುಂಪಿನಲ್ಲಿ ಹಿಂದಿನಿಂದ ಬಂದು ಆತನ
ಉಡುಪನ್ನು ಮುಟ್ಟಿದಳು. ಮುಟ್ಟಿದ ಕೂಡಲೆ ಆಕೆಗೆ ರಕ್ತಹರಿಯುವದು ನಿಂತುಹೋದದರಿಂದ
ಆಕೆಯು–ನನ್ನನ್ನು ಕಾಡಿದ ರೋಗವು ಹೋಗಿ ನನಗೆ ಗುಣವಾಯಿತು ಎಂದು ತನ್ನೊಳಗೆ
ತಿಳುಕೊಂಡಳು. ೩೦ ಆ ಕ್ಷಣವೇ ಯೇಸು ತನ್ನಿಂದ ಶಕ್ತಿಯು ಹೊರಟಿತೆಂದು ತನ್ನಲ್ಲಿ ತಿಳುಕೊಂಡು
ಗುಂಪಿನಲ್ಲಿ ಹಿಂತಿರುಗಿ–ನನ್ನ ಉಡುಪನ್ನು ಯಾರು ಮುಟ್ಟಿದರು? ಎಂದು ಕೇಳಲು ೩೧ ಆತನ
ಶಿಷ್ಯರು ಆತನಿಗೆ—ಜನರು ನಿನ್ನನ್ನು ನೂಕುವದನ್ನು ಕಂಡೂ ಕಂಡು ನನ್ನನ್ನು ಯಾರು ಮುಟ್ಟಿದರೆಂದು
ಕೇಳುತ್ತೀಯಲ್ಲಾ ಎಂದು ಹೇಳಿದರು. ೩೨ ಆದರೆ ಆತನು ಈ ಕೆಲಸ ಮಾಡಿದವಳನ್ನು
ಕಾಣಬೇಕೆಂದು ಸುತ್ತಲು ನೋಡುತ್ತಾ ಇರಲಾಗಿ ೩೩ ಆ ಹೆಂಗಸು ತನಗಾದದ್ದನ್ನು ತಿಳುಕೊಂಡು
ಅಂಜಿ ನಡುಗುತ್ತಾ ಬಂದು ಆತನಿಗೆ ಅಡ್ಡಬಿದ್ದು ಇದ್ದ ಸಂಗತಿಯನ್ನೆಲ್ಲಾ ಹೇಳಿದಳು. ೩೪ ಆತನು
ಆಕೆಗೆ–ಮಗಳೇ, ನಿನ್ನ ನಂಬಿಕೆಯೇ ನಿನ್ನನ್ನು ಸ್ವಸ್ಥಮಾಡಿತು; ಸಮಾಧಾನದಿಂದ ಹೋಗು;
ನಿನ್ನನ್ನು ಕಾಡಿದ ರೋಗವು ಹೋಗಿ ನಿನಗೆ ಗುಣವಾಗಲಿ ಎಂದು ಹೇಳಿದನು.
೩೫ ಆತನು ಇನ್ನೂ ಮಾತಾಡುತ್ತಿರುವಲ್ಲಿ ಸಭಾಮಂದಿರದ ಅಧಿಕಾರಿಯ ಕಡೆಯವರು
ಬಂದು–ನಿನ್ನ ಮಗಳು ತೀರಿಹೋದಳು; ಇನ್ನೇಕೆ ಗುರುವಿಗೆ ತೊಂದರೆ ಕೊಡುವದು? ಅಂದರು.
೩೬ ಅವರು ಆಡಿದ ಮಾತನ್ನು ಯೇಸು ಲಕ್ಷ್ಯಮಾಡದೆ ಸಭಾಮಂದಿರದ ಅಧಿಕಾರಿಗೆ–ಅಂಜಬೇಡ,
ನಂಬಿಕೆ ಮಾತ್ರ ಇರಲಿ ಎಂದು ಹೇಳಿದನು. ೩೭ ಮತ್ತು ಆತನು ಪೇತ್ರ, ಯಾಕೋಬ, ಯಾಕೋಬನ
ತಮ್ಮನಾದ ಯೋಹಾನ ಇವರನ್ನೇ ಹೊರತು ಬೇರೆ ಯಾರನ್ನೂ ತನ್ನೊಂದಿಗೆ ಬರಗೊಡಲಿಲ್ಲ.
೩೮ ಅವರು ಆ ಸಭಾಮಂದಿರದ ಅಧಿಕಾರಿಯ ಮನೆಗೆ ಬಂದಾಗ ಆತನು ಗದ್ದಲವನ್ನೂ ಕೆಲವರು
ಬಹಳವಾಗಿ ಅಳುವದನ್ನೂ ಗೋಳಾಡುವದನ್ನೂ ಕಂಡನು. ೩೯ ಆತನು ಒಳಕ್ಕೆ ಹೋಗಿ–ನೀವು
ಗದ್ದಲ ಮಾಡುವದೂ ಅಳುವದೂ ಯಾಕೆ? ಹುಡುಗಿ ಸತ್ತಿಲ್ಲ; ೪೦ ನಿದ್ದೆಮಾಡುತ್ತಾಳೆ ಅನ್ನಲು ಅವರು
ಆತನನ್ನು ಹಾಸ್ಯಮಾಡಿದರು. ಆದರೆ ಆತನು ಎಲ್ಲರನ್ನು ಹೊರಕ್ಕೆ ಕಳುಹಿಸಿ ಆ ಹುಡುಗಿಯ
ತಂದೆತಾಯಿಗಳನ್ನೂ ತನ್ನೊಂದಿಗಿದ್ದವರನ್ನೂ ಹುಡುಗಿಯಿದ್ದಲ್ಲಿಗೆ ಕರಕೊಂಡು ಹೋಗಿ
೪೧ ಅವಳ ಕೈಹಿಡಿದು–ತಲಿಥಾಕೂಮ್ ಅಂದನು. ಈ ಮಾತಿಗೆ–ಅಮ್ಮಣ್ಣೀ, ಏಳನ್ನುತ್ತೇನೆ
ಎಂದರ್ಥ. ೪೨ ಕೂಡಲೆ ಆ ಹುಡುಗಿ ಎದ್ದು ನಡೆದಾಡಿದಳು; ಆಕೆಯು ಹನ್ನೆರಡು ವರುಷ
ವಯಸ್ಸಿನವಳು. ೪೩ ಅವರು ಬಹಳ ಆಶ್ಚರ್ಯದಿಂದ ಬೆರಗಾದರು. ಆ ಮೇಲೆ ಆತನು
ಅವರಿಗೆ–ಇದು ಯಾರಿಗೂ ತಿಳಿಯಬಾರದೆಂದು ಬಹು ಖಂಡಿತವಾಗಿ ಹೇಳಿ ಆ ಹುಡುಗಿಗೆ
ಊಟಮಾಡಿಸಿರಿ ಅಂದನು.

### ಯೇಸುವಿನ ಸ್ವಂತ ಊರಿನವರು ಆತನನ್ನು ತಾತ್ಸಾರಮಾಡಿದ್ದು
### /(ಮತ್ತಾ. ೧೩.೫೪–೫೮; ಲೂಕ ೪.೧೫–೩೦)

೬ ೧ ಆತನು ಅಲ್ಲಿಂದ ಹೊರಟು ತನ್ನ ಊರಿಗೆ ಬಂದನು; ಶಿಷ್ಯರು ಆತನ ಹಿಂದೆಯೇ
ಬಂದರು. ೨ ಸಬ್ಬತ್‌ದಿನ ಬಂದಾಗ ಆತನು ಸಭಾಮಂದಿರಕ್ಕೆ ಹೋಗಿ ಉಪದೇಶಮಾಡುವದಕ್ಕೆ
ಪ್ರಾರಂಭಿಸಿದನು. ೩ ಇವನು ಆ ಬಡಗಿಯಲ್ಲವೇ. ಇವನು ಮರಿಯಳ ಮಗನಲ್ಲವೇ. ಯಾಕೋಬ
ಯೋಸೆ ಯೂದ ಸೀಮೋನ ಇವರ ಅಣ್ಣನಲ್ಲವೇ. ಇವನ ತಂಗಿಯರು ಇಲ್ಲಿ ನಮ್ಮಲ್ಲಿ ಇದ್ದಾನಲ್ಲವೇ
ಎಂದು ಮಾತಾಡಿಕೊಂಡು ಆತನ ವಿಷಯವಾಗಿ ಬೇಸರಗೊಂಡರು. ೪ ಯೇಸು ಅವರಿಗೆ–
ಪರವಾದಿಯು ಬೇರೆ ಎಲ್ಲಿದ್ದರೂ ಅವನಿಗೆ ಮರ್ಯಾದೆ ಉಂಟು; ಆದರೆ ಸ್ವದೇಶದಲ್ಲಿಯೂ
ಸ್ವಂತ ಜನರಲ್ಲಿಯೂ ಸ್ವಂತ ಮನೆಯಲ್ಲಿಯೂ ಮಾತ್ರ ಮರ್ಯಾದೆಯಿಲ್ಲ ಎಂದು ಹೇಳಿದನು.
೫ ಆತನು ಅಲ್ಲಿ ಕೆಲವು ಮಂದಿ ರೋಗಿಗಳ ಮೇಲೆ ಕೈಯಿಟ್ಟು ಸ್ವಸ್ಥಮಾಡಿದ್ದೇ ಹೊರತು ಬೇರೆ
ಯಾವ ಮಹತ್ಕಾರ್ಯವನ್ನೂ ಮಾಡುವದಕ್ಕಾಗಲಿಲ್ಲ. ೬ ಅವರು ತನ್ನನ್ನು ನಂಬದೆಹೋದದ್ದ ಆತನು
ಆಶ್ಚರ್ಯಪಟ್ಟನು.

### ಯೇಸು ಹನ್ನೆರಡು ಮಂದಿ ಶಿಷ್ಯರನ್ನು ಸುವಾರ್ತೆಸಾರುವದಕ್ಕೆ ಕಳುಹಿಸಿದ್ದು.

### (ಮತ್ತಾ. ೯.೩೫-೧೦. ೧೪; ಲೂಕ. ೯.೧-೬)

೭ ಆತನು ಹಳ್ಳೀಪಳ್ಳಿಗಳನ್ನು ಸುತ್ತಿಕೊಂಡು ಉಪದೇಶ ಮಾಡುತ್ತಾ ಬಂದನು. ಮತ್ತು ಹನ್ನೆರಡು
ಮಂದಿ ಶಿಷ್ಯರನ್ನು ಹತ್ತಿರಕ್ಕೆ ಕರೆದು ಅವರನ್ನು ಇಬ್ಬರಿಬ್ಬರಾಗಿ ಕಳುಹಿಸಲಾರಂಭಿಸಿದನು.
ಕಳುಹಿಸುವಾಗ ೮ ಅವರಿಗೆ ದೆವ್ವಗಳ ಮೇಲೆ ಅಧಿಕಾರ ಕೊಟ್ಟು–ಕೋಲು ಹೊರತು ದಾರಿಗೆ
ಏನೂ ತಕ್ಕೊಂಡು ಹೋಗಬೇಡಿರಿ; ಬುತ್ತಿ, ಹಸಿಬೆ, ಹಮ್ಮೀಣಿಯಲ್ಲಿ ದುಡ್ಡು ಬೇಡ. ೯ ಕೆರಗಳನ್ನು
ಮೆಟ್ಟಿಕೊಳ್ಳಬಹುದು. ಎರಡು ಅಂಗಿಗಳನ್ನು ತೊಟ್ಟುಕೊಳ್ಳಬೇಡಿರಿ ಎಂದು ಅಪ್ಪಣೆಕೊಟ್ಟನು.
೧೦ ಇದಲ್ಲದೆ ಆತನು ಅವರಿಗೆ – ನೀವು ಎಲ್ಲಿಯಾದರೂ ಒಂದು ಮನೆಯಲ್ಲಿ ಇಳುಕೊಂಡಾಗ
ಆ ಸ್ಥಳದಿಂದ ಹೊರಡುವ ತನಕ ಅಲ್ಲೇ ಇರಿ. ೧೧ ಮತ್ತು ಯಾವ ಸ್ಥಳದವರಾದರೂ ನಿಮ್ಮನ್ನು
ಸೇರಿಸಿಕೊಳ್ಳದೆಯೂ ನೀವು ಹೇಳುವದನ್ನು ಕೇಳದೆಯೂ ಹೋದರೆ ಆ ಸ್ಥಳದಿಂದ
ಹೊರಟುಹೋಗುವಾಗ ನಿಮ್ಮ ಕಾಲಿಗೆ ಹತ್ತಿದ ಧೂಳನ್ನು ಝಾಡಿಸಿಬಿಡಿರಿ; ಅದು ಅವರಿಗೆ
ಸಾಕ್ಷಿಯಾಗಿರಲಿ ಎಂದು ಹೇಳಿದನು. ೧೨ ಅವರು ಹೊರಟು ಹೋಗಿ ಜನರಿಗೆ–ದೇವರ ಕಡೆಗೆ
ತಿರುಗಿಕೊಳ್ಳಬೇಕೆಂದು ಸಾರಿ ೧೩ ಅನೇಕ ದೆವ್ವಗಳನ್ನು ಬಿಡಿಸಿ ಅನೇಕ ರೋಗಿಗಳಿಗೆ
ಎಣ್ಣೆಹಚ್ಚಿ ವಾಸಿಮಾಡಿದರು.

### ಅರಸನು ಸ್ನಾನಿಕನಾದ ಯೋಹಾನನನ್ನು ಕೊಲ್ಲಿಸಿದ ಮೇಲೆ
### ಯೇಸುವಿನ ಸುದ್ದಿಯನ್ನು ಕೇಳಿ ದಿಗಿಲುಬಿದ್ದದ್ದು.

### (ಮತ್ತಾ. ೧೪. ೧೪—೧೨; ಲೂಕ. ೯. ೭–೯; ೩. ೧೯, ೨೦)

೧೪ ಮತ್ತು ಅರಸನಾದ ಹೆರೋದನು (ಯೇಸುವಿನ ಸುದ್ದಿಯನ್ನು) ಕೇಳಿದನು. ಯಾಕಂದರೆ
ಆತನ ಹೆಸರು ಪ್ರಸಿದ್ಧವಾಯಿತು, ಮತ್ತು ಜನರು ಆತನ ವಿಷಯದಲ್ಲಿ – ಸ್ನಾನಿಕನಾದ
ಯೋಹಾನನೇ ತಿರಿಗಿ ಬದುಕಿ ಬಂದಿದ್ದಾನೆ; ಆದದರಿಂದ ಮಹತ್ಕಾರ್ಯಗಳನ್ನು ನಡಿಸುವ
ಶಕ್ತಿಗಳು ಅವನಲ್ಲಿ ಅವೆ ಎಂದು ಹೇಳುತ್ತಿದ್ದರು. ೧೫ ಕೆಲವರು – ಇವನು ಎಲೀಯನೆಂತಲೂ
ಕೆಲವರು – ಇವನು ಹಿಂದಿನ ಪ್ರವಾದಿಗಳಂತಿರುವ ಒಬ್ಬ ಪ್ರವಾದಿಯೆಂತಲೂ ಹೇಳಿದರು.
೧೬ ಆದರೆ ಹೆರೋದನು ಆತನ ಸುದ್ದಿಯನ್ನು ಕೇಳಿ – ನಾನು ತಲೆಹೊಯಿಸಿದ ಯೋಹಾನನೇ
ತಿರಿಗಿ ಬದುಕಿ ಬಂದಿದ್ದಾನೆ ಅಂದನು. ೧೭ ಹೆರೋದನು ತಾನು ಇಟ್ಟುಕೊಂಡಿದ್ದ ಹೆರೋದ್ಯಳ
ನಿಮಿತ್ತ ಯೋಹಾನನನ್ನು ಹಿಡಿತರಿಸಿ ಸೆರೆಯಲ್ಲಿ ಕಟ್ಟಿ ಹಾಕಿಸಿದ್ದನು. ಆ ಹೆರೋದ್ಯಳು
ಹೆರೋದನ ಅಣ್ಣನಾದ ಫಿಲಿಪ್ಪನ ಹೆಂಡತಿ. ೧೮ ಯೋಹಾನನು ಹೆರೋದನಿಗೆ–ನಿನ್ನ
ಅಣ್ಣನ ಹೆಂಡತಿಯನ್ನು ಇಟ್ಟುಕೊಂಡಿರುವದು ಧರ್ಮವಲ್ಲವೆಂದು ಹೇಳುತ್ತಿದ್ದನು. ೧೯ ಇದಕ್ಕೆ
ಹೆರೋದ್ಯಳು ಅವನ ಮೇಲೆ ದ್ವೇಷವಿಟ್ಟುಕೊಂಡು ಅವನನ್ನು ಕೊಲ್ಲಿಸಬೇಕೆಂದಿದ್ದರೂ
ಆಗದೆಹೋಯಿತು. ೨೦ ಹೆರೋದನು ಯೋಹಾನನನ್ನು ನೀತಿವಂತನೆಂದೂ ದೇವಭಕ್ತನೆಂದೂ
ತಿಳಿದು ಅಂಜಿಕೊಂಡು ಅವನಿಗೆ ಯಾವ ಅಪಾಯವೂ ಬಾರದಂತೆ ಇಟ್ಟಿದ್ದನು. ಇದಲ್ಲದೆ
ಯೋಹಾನನು ಹೇಳಿದ್ದನ್ನು ಅವನು ಕೇಳಿದಾಗ ಮನಸ್ಸಿನಲ್ಲಿ ಬಹು ಗಲಿಬಿಲಿ ಹುಟ್ಟಿದರೂ

ಅವನ ಮಾತನ್ನು ಸಂತೋಷದಿಂದ ಕೇಳುತ್ತಿದ್ದನು. ೨೧ ಹೀಗಿರಲಾಗಿ ಅವಳಿಗೆ ಅನುಕೂಲವಾದ
ದಿವಸ ಬಂತು; ಹೇಗಂದರೆ ಹೆರೋದನು ತಾನು ಹುಟ್ಟಿದ ದಿವಸದಲ್ಲಿ ಪ್ರಭುಗಳಿಗೂ
ಸಹಸ್ರಾಧಿಪತಿಗಳಿಗೂ ಗಲಿಲಾಯ ಸೀಮೆಯ ಮುಖ್ಯಸ್ಥರಿಗೂ ಔತಣವನ್ನು ಮಾಡಿಸಿದಾಗ
೨೨ ಹೆರೋದ್ಯಳ ಮಗಳು ಒಳಕ್ಕೆ ಬಂದು ನಾಟ್ಯವಾಡಿ ಹೆರೋದನನ್ನೂ ಅವನ ಸಂಗಡ ಪಙ್ತಿಯಲ್ಲಿ
ಊಟಕ್ಕೆ ಕೂತಿದ್ದವರನ್ನೂ ಮೆಚ್ಚಿಸಿದಳು. ಅರಸನು ಆ ಹುಡುಗಿಗೆ– ಬೇಕಾದದ್ದನ್ನು ಕೇಳಿಕೋ,
ಕೊಡುತ್ತೇನೆ. ೨೩ ನೀನು ನನ್ನನ್ನು ಏನು ಕೇಳಿಕೊಂಡರೂ ಸರಿ, ನನ್ನ ರಾಜ್ಯದಲ್ಲಿ ಅರ್ಧ ರಾಜ್ಯವನ್ನು
ಕೇಳಿದರೂ, ನಿನಗೆ ಕೊಡುತ್ತೇನೆ ಎಂದು ಆಣೆಯಿಟ್ಟುಕೊಂಡು ಹೇಳಿದನು. ೨೪ ಆಗ ಅವಳು
ಹೊರಕ್ಕೆ ಹೋಗಿ–ನಾನು ಏನು ಕೇಳಿಕೊಳ್ಳಲಿ? ಎಂದು ತನ್ನ ತಾಯಿಯನ್ನು ಕೇಳಲಾಗಿ
ಅವಳು–ಸ್ನಾನಿಕನಾದ ಯೋಹಾನನ ತಲೆಯನ್ನು ಕೇಳಿಕೋ ಅಂದಳು. ೨೫ ಕೂಡಲೆ ಅವಳು
ಅರಸನ ಬಳಿಗೆ ಅವಸರದಿಂದ ಬಂದು–ಈ ಕ್ಷಣದಲ್ಲೇ ಸ್ನಾನಿಕನಾದ ಯೋಹಾನನ ತಲೆಯನ್ನು
ಪರಾತಿನಲ್ಲಿ ನನಗೆ ತರಿಸಿಕೊಡಬೇಕೆಂದೇ ನನ್ನ ಕೋರಿಕೆ ಎಂದು ಅರಿಕೆಮಾಡಿಕೊಂಡಳು.
೨೬ ಅದಕ್ಕೆ ಅರಸನು ಬಹು ದುಃಖಪಟ್ಟರೂ ತಾನು ಇಟ್ಟು ಕೊಂಡ ಆಣೆಗಳ ನಿಮಿತ್ತವಾಗಿಯೂ
ತನ್ನ ಪಙ್ತಿಯಲ್ಲಿ ಕೂತಿದ್ದವರ ನಿಮಿತ್ತವಾಗಿಯೂ ಅವಳನ್ನು ಅಸಡ್ಡೆಮಾಡುವದಕ್ಕೆ ಮನಸ್ಸಿಲ್ಲದೆ
೨೭ ಕೂಡಲೆ ತನ್ನ ಮೈಗಾವಲಿನ ಸಿಪಾಯಿಗಳಲ್ಲಿ ಒಬ್ಬನಿಗೆ–ನೀನು ಹೋಗಿ ಯೋಹಾನನ
ತಲೆಯನ್ನು ತಂದುಕೊಡು ಎಂದು ಅಪ್ಪಣೆಕೊಟ್ಟು ಕಳುಹಿಸಿದನು; ೨೮ ಅವನು ಹೋಗಿ
ಸೆರೆಮನೆಯಲ್ಲಿ ಅವನ ತಲೆಯನ್ನು ಹೊಯಿದು ಪರಾತಿನಲ್ಲಿ ತಂದು ಆ ಹುಡುಗಿಗೆ ಕೊಟ್ಟನು.
ಆ ಹುಡುಗಿ ಅದನ್ನು ತನ್ನ ತಾಯಿಗೆ ಕೊಟ್ಟಳು. ೨೯ ಯೋಹಾನನ ಶಿಷ್ಯರು ಈ ಸಂಗತಿಗಳನ್ನು
ಕೇಳಿದಾಗ ಅವರು ಬಂದು ಅವನ ಶವವನ್ನು ಹೊತ್ತುಕೊಂಡು ಹೋಗಿ ಸಮಾಧಿಯಲ್ಲಿ ಇಟ್ಟರು.

### ಯೇಸು ಐದುಸಾವಿರ ಜನರಿಗೆ ಊಟಮಾಡಿಸಿದ್ದು: ಸಮುದ್ರದ ಮೇಲೆ ನಡೆದದ್ದು; ರೋಗಿಗಳನ್ನು ಸ್ವಸ್ಥಮಾಡಿದ್ದು.

(ಮತ್ತಾ. ೧೪. ೧೩–೩೬; ಲೂಕ ೯.೧೦-೧೭; ಯೋಹಾ. ೬.೧-೨೧)

೩೦ ಇತ್ತಲಾಗಿ ಅಪೊಸ್ತಲರು ಆತನ ಬಳಿಗೆ ಕೂಡಿ ಬಂದು ತಾವು ಮಾಡಿದ್ದನ್ನೂ
ಉಪದೇಶಿಸಿದ್ದನ್ನೂ ಎಲ್ಲಾ ಆತನಿಗೆ ತಿಳಿಸಲು ೩೧ ಆತನು ಅವರಿಗೆ–ನೀವು ಮಾತ್ರ
ಪ್ರತ್ಯೇಕವಾಗಿ ಅಡವಿಗೆ ಬಂದು ಸ್ವಲ್ಪ ದಣುವಾರಿಸಿಕೊಳ್ಳಿರಿ ಎಂದು ಹೇಳಿದನು. ಯಾಕಂದರೆ
ಬಹಳ ಮಂದಿ ಬರುತ್ತಾ ಹೋಗುತ್ತಾ ಇದ್ದದರಿಂದ ಅವರಿಗೆ ಊಟಮಾಡುವದಕ್ಕೂ ಅವಕಾಶ
ಸಿಕ್ಕಲಿಲ್ಲ. ೩೨ ಆಗ ಅವರು ದೋಣಿಯಲ್ಲಿ ಹೊರಟು ಪ್ರತ್ಯೇಕವಾಗಿ ಅಡವಿಗೆ ಹೋದರು.
೩೩ ಅವರು ಹೋಗುವದನ್ನು ಬಹು ಜನರು ಕಂಡು ಅವರ ಗುರುತನ್ನು ಹಿಡಿದು ಎಲ್ಲಾ ಊರುಗಳಿಂದ
ಕಾಲುನಡಿಗೆಯಾಗಿ ಓಡಿ ಅವರಿಗಿಂತ ಮುಂಚೆ ಅಲ್ಲಿ ಸೇರಿದರು. ೩೪ ಆತನು ಹೊರಗೆ ಬಂದು
ಬಹುಜನರ ಗುಂಪನ್ನು ಕಂಡು ಇವರು ಕುರುಬನಿಲ್ಲದ ಕುರಿಗಳ ಹಾಗಿದ್ದಾರಲ್ಲಾ ಎಂದು ಕನಿಕರಪಟ್ಟು
ಅವರಿಗೆ ಬಹಳ ಉಪದೇಶಮಾಡುತ್ತಿದ್ದನು. ೩೫ ಅಷ್ಟರಲ್ಲಿ ಬಹಳ ಹೊತ್ತಾದ್ದರಿಂದ ಆತನ
ಶಿಷ್ಯರು ಆತನ ಬಳಿಗೆ ಬಂದು–ಇದು ಅಡವಿ, ೩೬ ಈಗ ಹೊತ್ತು ಬಹಳವಾಯಿತು; ಈ ಜನರಿಗೆ
ಅಪ್ಪಣೆಕೊಡು; ಇವರು ಸುತ್ತಲಿರುವ ಹಳ್ಳಿಪಳ್ಳಿಗಳಿಗೆ ಹೋಗಿ ತಮ್ಮ ಊಟಕ್ಕೆ ಏನಾದರೂ
ಕೊಂಡು ಕೊಳ್ಳಲಿ ಅಂದದ್ದಕ್ಕೆ ೩೭ ಯೇಸು–ನೀವೇ ಅವರಿಗೆ ಊಟಕ್ಕೆ ಕೊಡಿರಿ ಎಂದು
ಉತ್ತರಕೊಟ್ಟನು. ಅದಕ್ಕವರು–ನಾವು ಹೋಗಿ ಇನ್ನೂರು ಹಣಕ್ಕೆ ರೊಟ್ಟಿಯನ್ನು ಕೊಂಡುಕೊಂಡು
ಅವರಿಗೆ ಊಟಕ್ಕೆ ಕೊಡಬೇಕೋ? ಎಂದು ಹೇಳಲು ೩೮ ಆತನು–ನಿಮ್ಮಲ್ಲಿ ಎಷ್ಟು ರೊಟ್ಟಿಗಳಿವೆ?
ಹೋಗಿ ನೋಡಿಕೊಂಡು ಬನ್ನಿ ಅಂದನು. ಅವರು ತಿಳುಕೊಂಡು ಬಂದು–ಐದು ರೊಟ್ಟಿ ಎರಡು
ಮೀನು ಅಂದರು. ೩೯ ಆಗ ಆತನು ಅವರಿಗೆ–ಎಲ್ಲರೂ ಹಸುರುಹುಲ್ಲಿನ ಮೇಲೆ ಪಙ್ತಿಪಙ್ತಿಯಾಗಿ
ಕೂತುಕೊಳ್ಳಲಿ ಎಂದು ಅಪ್ಪಣೆಕೊಟ್ಟಾಗ ೪೦ ಜನರು ಪಙ್ತಿಗೆ ನೂರರಂತೆ ಐವತ್ತರಂತೆ
ಸಾಲುಸಾಲಾಗಿ ಕೂತುಕೊಂಡರು. ೪೧ ಆ ಮೇಲೆ ಆತನು ಆ ಐದು ರೊಟ್ಟಿ ಎರಡು ಮೀನುಗಳನ್ನು
ತೆಗೆದುಕೊಂಡು ಆಕಾಶದ ಕಡೆಗೆ ನೋಡಿ ದೇವರ ಸ್ತೋತ್ರಮಾಡಿ ಆ ರೊಟ್ಟಿಗಳನ್ನು
ಮುರಿದು–ನೀವು ಜನರಿಗೆ ಹಂಚಿರಿ ಎಂದು ಶಿಷ್ಯರ ಕೈಗೆ ಕೊಟ್ಟು ಆ ಎರಡು ಮೀನುಗಳನ್ನೂ
ಎಲ್ಲರಿಗೆ ಹಂಚಿಸಿದನು. ೪೨ ಅವರೆಲ್ಲರೂ ಊಟಮಾಡಿ ತೃಪ್ತರಾದರು. ೪೩ ರೊಟ್ಟಿತುಂಡುಗಳನ್ನೂ
ಮೀನಿನ ತುಂಡುಗಳನ್ನೂ ಕೂಡಿಸಲಾಗಿ ಹನ್ನೆರಡು ಪುಟ್ಟಿ ತುಂಬಿತು. ೪೪ ಊಟಮಾಡಿದವರು
ಐದುಸಾವಿರ ಮಂದಿ ಗಂಡಸರು.

[೪೫] ಇದಾದ ಕೂಡಲೆ ಆತನು ತನ್ನ ಶಿಷ್ಯರಿಗೆ–ನಾನು ಈ ಜನರ ಗುಂಪನ್ನು
ಕಳುಹಿಸಿಬಿಡುವಷ್ಟರೊಳಗೆ ನೀವು ದೋಣಿಯನ್ನು ಹತ್ತಿ ಮುಂದಾಗಿ ಆಚೇದಡಕ್ಕೆ
ಬೇತ್ಸಾಯಿದಕ್ಕೆ ಹೋಗಿರಿ ಎಂದು ಬಲವಂತಮಾಡಿದನು. [೪೬] ಆತನು ಜನರಿಗೆ
ಅಪ್ಪಣೆಕೊಟ್ಟನಂತರ ಪ್ರಾರ್ಥನೆ ಮಾಡುವದಕ್ಕಾಗಿ ಬೆಟ್ಟಕ್ಕೆ ಹೋದನು. [೪೭] ಹೊತ್ತು ಮುಳುಗಿದ
ಮೇಲೆ ದೋಣಿಯು ಸಮುದ್ರದ ನಡುವೆ ಇತ್ತು; ಯೇಸು ಒಬ್ಬನೇ ದಡದಲ್ಲಿದ್ದನು. [೪೮] ಎದುರು
ಗಾಳಿ ಬೀಸುತ್ತಿದ್ದದರಿಂದ ಶಿಷ್ಯರು ಹುಟ್ಟು ಹಾಕಿ ಹಾಕಿ ಒದ್ದಾಡುವದನ್ನು ಆತನು ಕಂಡು
ಹೆಚ್ಚುಕಡಿಮೆ ರಾತ್ರಿಯ ನಾಲ್ಕನೆಯ ಜಾವದಲ್ಲಿ ಸಮುದ್ರದ ಮೇಲೆ ನಡೆದು ಅವರ ಕಡೆಗೆ
ಬಂದು ಅವರನ್ನು ದಾಟಿ ಮುಂದಕ್ಕೆ ಹೋಗಬೇಕೆಂದಿದ್ದನು. [೪೯] ಸಮುದ್ರದಮೇಲೆ ನಡೆಯುವ
ಆತನನ್ನು ಅವರು ಕಂಡು ಭೂತವೆಂದು ಭಾವಿಸಿ ಅಬ್ಬರಿಸಿ ಕೂಗಿದರು; ಅವರೆಲ್ಲರೂ ಆತನನ್ನು
ನೋಡಿ ತತ್ತರಿಸಿದರು. [೫೦] ಆತನು ಕೂಡಲೆ ಅವರನ್ನು ಮಾತಾಡಿಸಿ ಅವರಿಗೆ–ಧೈರ್ಯವಾಗಿರಿ;
ನಾನು; ಅಂಜಬೇಡಿರಿ ಎಂದು ಹೇಳಿದನು. [೫೧] ತರುವಾಯ ಆತನು ದೋಣಿಯನ್ನು ಹತ್ತಿ ಅವರ
ಬಳಿಗೆ ಬಂದ ಮೇಲೆ ಗಾಳಿ ನಿಂತುಹೋಯಿತು. ಆಗ ಅವರು ತಮ್ಮೊಳಗೆ ಬಹಳವಾಗಿ
ಬೆರಗಾದರು. [೫೨] ಯಾಕಂದರೆ ಅವರು ರೊಟ್ಟಿಯ ವಿಷಯವಾದ ಮಹತ್ಕಾರ್ಯವನ್ನು ಗ್ರಹಿಸಲಿಲ್ಲ;
ಅವರ ಮನಸ್ಸು ಕಲ್ಲಾಗಿತ್ತು.

[೫೩] ಅವರು ಸಮುದ್ರವನ್ನು ದಾಟಿ ಗೆನೆಜರೇತ್ ದೇಶದ ದಡಕ್ಕೆ ಮುಟ್ಟಿ ದೋಣಿಯನ್ನು
ಕಟ್ಟಿದರು. [೫೪] ಅವರು ದೋಣಿಯಿಂದ ಇಳಿದ ಕೂಡಲೆ ಜನರು ಆತನ ಗುರುತನ್ನು ಹಿಡಿದು [೫೫] ಆ
ಸೀಮೆಯಲ್ಲೆಲ್ಲಾ ಓಡಾಡುತ್ತಾ ಮೈಯಲ್ಲಿ ನೆಟ್ಟಗಿಲ್ಲದವರನ್ನು ದೋಲಿಯ ಮೇಲೆ ಹಾಕಿಕೊಂಡು
ಆತನು ಎಲ್ಲೆಲ್ಲಿ ಇದ್ದಾನೆಂದು ಕೇಳಿದರೋ ಅಲ್ಲಲ್ಲಿಗೆ ತೆಗೆದುಕೊಂಡು ಹೋದರು. [೫೬] ಆತನು
ಯಾವ ಗ್ರಾಮಗಳಿಗೂ ಯಾವ ಊರು ಹಳ್ಳಿಗಳಿಗೂ ಹೋದನೋ ಅಲ್ಲಿಯವರು ರೋಗಿಗಳನ್ನು
ಪೇಟೆಗಳಲ್ಲಿ ಇಟ್ಟು–ನಿನ್ನ ಉಡುಪಿನ ಗೊಂಡೆಯನ್ನಾದರೂ ಮುಟ್ಟಗೊಡಿಸಬೇಕೆಂದು ಆತನನ್ನು
ಮುಟ್ಟಿದವರೆಲ್ಲರೂ ಸ್ವಸ್ಥರಾದರು.

### ಊಟದಿಂದ ಮನುಷ್ಯರು ಕೆಡುವದಿಲ್ಲವೆಂದು ಯೇಸು ಬೋಧಿಸಿದ್ದು.

(ಮತ್ತಾ. ೧೫.೧–೨೦)

೭ [೧] ತರುವಾಯ ಯೆರೂಸಲೇಮಿನಿಂದ ಬಂದಿದ್ದ ಫರಿಸಾಯರೂ ಶಾಸ್ತ್ರಿಗಳಲ್ಲಿ ಕೆಲವರೂ
ಆತನ ಬಳಿಗೆ ಕೂಡಿ ಬಂದರು. [೨] ಫರಿಸಾಯರೂ ಯೆಹೂದ್ಯರೆಲ್ಲರೂ ಹಿರಿಯರಿಂದ
ಬಂದ ಸಂಪ್ರದಾಯವನ್ನು ಹಿಡಿದು ತಮ್ಮ ಕೈಗಳನ್ನು ಚೆನ್ನಾಗಿ ತೊಳಕೊಳ್ಳದೆ ಆಹಾರ
ತೆಗೆದುಕೊಳ್ಳುವದಿಲ್ಲ; [೩] ಮತ್ತು ಪೇಟೆಗೆ ಹೋಗಿ ಬಂದರೆ ನೀರನ್ನು ಪ್ರೋಕ್ಷಿಸಿಕೊಳ್ಳದೆ
ಆಹಾರ ತೆಗೆದುಕೊಳ್ಳುವದಿಲ್ಲ; ಇದಲ್ಲದೆ ಅವರಲ್ಲಿ ತಂಬಿಗೆ ಬಟ್ಟಲು ತಪ್ಪಲೆಗಳನ್ನು
ಬೆಳಗಿ ತೊಳೆಯುವದೇ ಮೊದಲಾದ ಅನೇಕಾಚಾರಗಳನ್ನು ನಡಿಸುವ ನೇಮಕವುಂಟು.
[೪] ಅತನ ಶಿಷ್ಯರಲ್ಲಿ ಕೆಲವರು ಮೈಲಿಗೆಯ ಕೈಯಿಂದ, ಅಂದರೆ ಕೈ ತೊಳಕೊಳ್ಳದೆ ಆಹಾರ
ತೆಗೆದುಕೊಳ್ಳುವದನ್ನು ಆ ಫರಿಸಾಯರೂ ಶಾಸ್ತ್ರಿಗಳೂ ಕಂಡು [೫] ಆತನನ್ನು–ನಿನ್ನ ಶಿಷ್ಯರು
ಹಿರಿಯರಿಂದ ಬಂದ ಸಂಪ್ರದಾಯದಂತೆ ಯಾಕೆ ನಡೆದುಕೊಳ್ಳುವದಿಲ್ಲ? ಮೈಲಿಗೆಯ ಕೈಯಿಂದ
ಯಾಕೆ ಆಹಾರ ತೆಗೆದುಕೊಳ್ಳುತ್ತಾರೆ ಎಂದು ಕೇಳಿದರು. [೬] ಅದಕ್ಕೆ ಆತನು – ಕಪಟಿಗಳಾದ ನಿಮ್ಮ
ವಿಷಯದಲ್ಲಿ ಯೆಶಾಯನು ವಿಹಿತವಾಗಿ ಪ್ರವಾದಿಸಿದ್ದಾನೆ; ಅವನು ಬರೆದದ್ದೇನಂದರೆ –
ಈ ಜನರು ಮಾತಿನಿಂದ ನನ್ನನ್ನು ಸನ್ಮಾನಿಸುತ್ತಾರೆ,
ಆದರೆ ಅವರ ಮನಸ್ಸು ನನಗೆ ದೂರವಾಗಿದೆ. [೭] ಮನುಷ್ಯರು ಕಲ್ಪಿಸಿದ ಕಟ್ಟಳೆಗಳನ್ನೇ ಅವರು
ಬೋಧಿಸುವದರಿಂದ ನನಗೆ ಭಕ್ತಿತೋರಿಸುವದು ವ್ಯರ್ಥ ಎಂಬದೇ.

[೮] ನೀವು ದೇವರ ಆಜ್ಞೆಯನ್ನು ಬಿಟ್ಟು ಮನುಷ್ಯರು ಕಲ್ಪಿಸಿದ ಸಂಪ್ರದಾಯವನ್ನು ಹಿಡಿದಿದ್ದೀರಿ
ಎಂದು ಹೇಳಿದನು. [೯] ಆತನು ಇನ್ನೂ ಅವರಿಗೆ–ನೀವು ನಿಮ್ಮ ಸಂಪ್ರದಾಯವನ್ನು ಹಿಡಿದು
ನಡಿಸುವದಕ್ಕಾಗಿ ದೇವರ ಆಜ್ಞೆಯನ್ನು ವ್ಯರ್ಥಮಾಡುತ್ತೀರಿ; ಬಹು ಚೆನ್ನಾಗಿದೆಯಲ್ಲವೇ.
[೧೦] ತಂದೆತಾಯಿಗಳನ್ನು ಸನ್ಮಾನಿಸಬೇಕೆಂತಲೂ ತಂದೆಯನ್ನಾಗಲಿ ತಾಯಿಯನ್ನಾಗಲಿ
ದೂಷಿಸುವವನಿಗೆ ಮರಣದಂಡನೆ ಆಗಬೇಕೆಂತಲೂ ಮೋಶೆಯು ಹೇಳಿದ್ದಾನೆ; [೧೧] ನೀವೋ
ಒಬ್ಬನು ತನ್ನ ತಂದೆಯನ್ನಾಗಲಿ ತಾಯಿಯನ್ನಾಗಲಿ ನೋಡಿ–ನಾನು ನಿನ್ನ ಸಂರಕ್ಷಣೆಗಾಗಿ
ಕೊಡತಕ್ಕದ್ದನ್ನು ಕೊರ್ಬಾನ್ ಮಾಡಿದ್ದೇನೆ (ಅಂದರೆ ದೇವರಿಗಾಗಿ ಇಟ್ಟಿದ್ದೇನೆ) ಎಂದು
ಹೇಳುವದಾದರೆ [೧೨] ಅವನು ತನ್ನ ತಂದೆಗಾಗಲಿ ತಾಯಿಗಾಗಲಿ ಇನ್ನೇನೂ ಮಾಡಬಾರದೆಂದು

ಹೇಳುತ್ತೀರಿ. ೧೩ ಹೀಗೆ ನೀವು ಕಲಿಸುತ್ತಾ ಬಂದಿರುವ ಸಂಪ್ರದಾಯದಿಂದ ದೇವರ ವಾಕ್ಯವನ್ನು
ನಿಷ್ಫಲಮಾಡುತ್ತೀರಿ, ಮತ್ತು ಇಂಥ ಕಾರ್ಯಗಳನ್ನು ಕನ್ನೂ ಎಷ್ಟೋ ಮಾಡುತ್ತೀರಿ ಎಂದು ಹೇಳಿದನು.
೧೪ ಆ ಮೇಲೆ ಯೇಸು ಜನರ ಗುಂಪನ್ನು ತಿರಿಗಿ ಹತ್ತರಕ್ಕೆ ಕರೆದು–ಎಲ್ಲರೂ ಕಿವಿಗೊಟ್ಟು ನನ್ನ
ಮಾತನ್ನು ಕೇಳಿರಿ, ತಿಳುಕೊಳ್ಳಿರಿ. ೧೫ ಹೊರಗಿನಿಂದ ಮನುಷ್ಯನೊಳಕ್ಕೆ ಹೋಗಿ ಅವನನ್ನು
ಹೊಲೆಮಾಡತಕ್ಕಂಥದು ಒಂದೂ ಇಲ್ಲ; ಆದರೆ ಮನುಷ್ಯನೊಳಗಿಂದ ಹೊರಡುವವುಗಳೇ
ಮನುಷ್ಯನನ್ನು ಹೊಲೆಮಾಡುವಂಥವುಗಳಾಗಿವೆ ಎಂದು ಹೇಳಿದನು. ೧೬ ೧೭ ತರುವಾಯ ಆತನು
ಜನರನ್ನು ಬಿಟ್ಟು ಮನೆಯೊಳಕ್ಎಕ ಹೋದಾಗ ಆತನ ಶಿಯರು ಆ ಸಾಮ್ಯದ ಅರ್ಥವೇನೆಂದು
ಆತನನ್ನು ಕೇಳಲು ೧೮ ಆತನು ಅವರಿಗೆ – ನಿಮಗೂ ಅಷ್ಟು ಬುದ್ಧಿ ಇಲ್ಲವೇ? ಹೊರಗಿನಿಂದ
ಮನುಷ್ಯುನೊಳಕ್ಕೆ ಹೋಗುವಂಥದು ೧೯ ಅವನ ಹೃದಯದೊಳಕ್ಕೆ ಸೇರದೆ ಹೊಟ್ಟೆಯಲ್ಲಿ
ಸೇರಿ ಬಹಿರ್ದೇಶಕ್ಕೆ ಹೋಗುವದರಿಂದ ಅವನನ್ನು ಹೊಲೆಮಾಡಲಾರದೆಂದು ನಿಮಗೆ
ತಿಳಿಯಲಿಲ್ಲವೋ ಎಂದು ಹೇಳಿದನು. ಹೀಗೆ ಹೇಳಿದ್ದರಿಂದ ತಿನ್ನುವ ಪದಾರ್ಥಗಳೆಲ್ಲಾ
ಶುದ್ಧವೆಂದು ಸೂಚಿಸಿದನು. ೨೦ ಆತನು ಇನ್ನೂ–ಮನುಷ್ಯನೊಳಗಿಂದ ಹೊರಡುವಂಥದೇ
ಮನುಷ್ಯನನ್ನು ಹೊಲೆಮಾಡುವದು; ೨೧ ಒಳಗಿನಿಂದ ಅಂದರೆ ಮನುಷ್ಯರ ಮನಸ್ಸಿನೊಳಗಿಂದ
೨೨ ಸೂಳೆಗಾರಿಕೆ ಕಳ್ಳತನ ಕೊಲೆ ಹಾದರ ದ್ರವ್ಯಾಶೆ ಕೆಡುಕುತನ ಮೋಸಬಂಡತನ ಹೊಟ್ಟೇಕಿಚ್ಚು
ಬೈಗಳು ಸೊಕ್ಕು ಬುದ್ಧಿಗೇಡಿತನ ಇವೇ ಮೊದಲಾದವುಗಳ ಕೆಟ್ಟ ಆಲೋಚನೆಗಳು
ಹೊರಡುತ್ತವೆ. ೨೩ ಈ ಕೆಟ್ಟ ವಿಷಯಗಳೆಲ್ಲಾ ಒಳಗಿನಿಂದ ಹೊರಟು ಮನುಷ್ಯನನ್ನು
ಹೊಲೆಮಾಡುತ್ತವೆ ಅಂದನು.

## ಯೇಸು ಅನ್ಯಮತಸ್ಥಳ ಮಗಳನ್ನೂ ಒಬ್ಬ ಮೂಕನನ್ನೂ ಸ್ವಸ್ಥಮಾಡಿದ್ದು.

(ಮತ್ತಾ. ೧೫. ೨೨–೨೮)

೨೪ ಅಲ್ಲಿಂದ ಯೇಸು ಎದ್ದು ಹೊರಟು ತೂರ್ ಪಟ್ಟಣದ ಪ್ರಾಂತ್ಯಗಳಿಗೆ ಹೋಗಿ ಒಂದು
ಮನೆಯೊಳಗೆ ಇಳುಕೊಂಡು ಅದು ಯಾರಿಗೂ ಗೊತ್ತಾಗಬಾರದೆಂದಿದ್ದನು; ಆದರೆ ಆತನು
ಗುಪ್ತವಾಗಿರುವದಕ್ಕೆ ಆಗದೆ ಹೋಯಿತು. ೨೫ ಕೂಡಲೆ ಒಬ್ಬ ಹೆಂಗಸು ಆತನ ಸುದ್ದಿಯನ್ನು
ಕೇಳಿ ಬಂದು ಆತನ ಪಾದಕ್ಕೆ ಬಿದ್ದಳು. ೨೬ ಆಕೆಯ ಮಗಳಿಗೆ ದೆವ್ವ ಹಿಡಿದಿತ್ತು. ಆ ಹೆಂಗಸು
ಅನ್ಯಮತದವಳೂ ಸುರೋಫೊಯಿನಿಕ್ಯರವಳೂ ಆಗಿದ್ದಳು. ೨೭ ಆಕೆಯು ತನ್ನ ಮಗಳ
ದೆವ್ವವನ್ನಲು ಬಿಡಿಸಬೇಕೆಂದು ಆತನನ್ನು ಬೇಡಿಕೊಂಡಾಗ ಆತನು ಆಕೆಗೆ–ಮಕ್ಕಳಿಗೆ
ಮೊದಲು ತೃಪ್ತಿಯಾಗಲಿ; ಮಕ್ಕಳು ತಿನ್ನುವ ರೊಟ್ಟಿಯನ್ನು ತಕ್ಕೊಂಡು ನಾಯಿಮರಿಗಳಿಗೆ
ಹಾಕುವದು ಸರಿಯಲ್ಲ ಎಂದು ಹೇಳಿದನು. ೨೮ ಅದಕ್ಕೆ ಆಕೆಯು–ಸ್ವಾಮೀ, ಆ ಮಾತು ನಿಜವೇ;
ಮೇಜಿನ ಕೆಳಗಿರುವ ನಾಯಿಮರಿಗಳಂತೂ ಮಕ್ಕಳ ಕೈಯಿಂದ ಬೀಳುವ ರೊಟ್ಟೀತುಂಡುಗಳನ್ನು
ತಿನ್ನುತ್ತವಲ್ಲಾ ಎಂದು ಉತ್ತರಕೊಡಲು ೨೯ ಆತನು–ಈ ಮಾತನ್ನು ಹೇಳಿದ್ದರಿಂದ ದೆವ್ವವು ನಿನ್ನ
ಮಗಳನ್ನು ಬಿಟ್ಟು ಬಿಟ್ಟಿದೆ, ಹೋಗು ಅಂದನು. ೩೦ ಆಕೆಯು ತನ್ನ ಮನೆಗೆ ಹೋಗಿ ನೋಡಲಾಗಿ
ಆ ಹುಡುಗಿ ಹಾಸಿಗೆಯ ಮೇಲೆ ಮಲಗಿದ್ದಳು; ದೆವ್ವ ಅವಳನ್ನು ಬಿಟ್ಟು ಹೋಗಿತ್ತು.
೩೧ ಅಣಂತರ ಆತನು ತೂರ್ ಪಟ್ಟಣದ ಪ್ರಾಂತ್ಯಗಳನ್ನು ಬಿಟ್ಟು ಸೀದೋನ್ ಪಟ್ಟಣದ ಮಾರ್ಗವಾಗಿ
ದೆಕಪೊಲಿಯ ಪ್ರಾಂತ್ಯಗಳನ್ನು ಹಾದು ಗಲಿಲಾಯ ಸಮುದ್ರಕ್ಕೆ ಬಂದನು. ೩೨ ಆಗ ಕೆಲವರು
ಮೊತಲು ಮಾತಾಡುವ ಒಬ್ಬ ಕಿವುಡನನ್ನು ಆತನ ಬಳಿಗೆ ಕರತಂದು–ಇವನ ಮೇಲೆ ನಿನ್ನ
ಕೈಯಿಡಬೇಕು ಎಂದು ಆತನನ್ನು ಬೇಡಿಕೊಂಡರು. ೩೩ ಆತನು ಅವನನ್ನು ಜನರ ಗುಂಪಿನಿಂದ
ಒತ್ತಟ್ಟಿಗೆ ಕರಕೊಂಡು ಹೋಗಿ ತನ್ನ ಬೆರಳುಗಳನ್ನು ಅವನ ಕಿವಿಗಳಲ್ಲಿ ಇಟ್ಟು ಉಗುಳಿ ಅವನ
ನಾಲಿಗೆಯನ್ನು ಮುಟ್ಟಿ ೩೪ ಆಕಾಶದ ಕಡೆಗೆ ನೋಡಿ ನಿಟ್ಟುಸುರುಬಿಟ್ಟು ಅವನಿಗೆ–ಎಪ್ಫಥಾ ಎಂದು
ಹೇಳಿದನು. ಆ ಶ್ದಕ್ಕೆ ತೆರೆಯಲಿ ಎಂದರ್ಥ. ೩೫ ಹೇಳುತ್ತಲೇ ಅವನ ಕಿವಿ ತೆರೆದವು; ಅವನ
ನಾಲಿಗೆಯ ಕಟ್ಟು ಬಿಚ್ಚಿಹೋಯಿತು; ಅವನು ನೆಟ್ಟಗೆ ಮಾತಾಡಿದನು. ೩೬ ಆಗ ಆತನು–ಯಾರಿಗೂ
ತಿಳಿಸಬಾರದೆಂದು ಅವರಿಗೆ ಖಂಡಿತವಾಗಿ ಹೇಳೀದನು. ಆದರೆ ಎಷ್ಟು ಖಂಡಿತವಾಗಿ
ಹೇಳಿದರೂ ಅವರು ಮತ್ತಷ್ಟು ಹೆಚ್ಚಾಗಿ ಅದನ್ನು ಹಬ್ಬಿಸಿದರು. ೩೭ ಅವರು ಅತ್ಯಂತಾಶ್ಚರ್ಯಪಟ್ಟು–
ಎಲ್ಲಾ ಚೆನ್ನಾಗಿ ಮಾಡಿದ್ದಾನೆ; ಕಿವುಡರಾದರೂ ಕೇಳುವಂತೆ ಮಾಡುತ್ತಾನೆ, ಮೂಕರಾದರೂ
ಮಾತಾಡುವಂತೆ ಮಾಡುತ್ತಾನೆ ಅಂದುಕೊಂಡರು.

ಯೇಸು ನಾಲ್ಕುಸಾವಿರ ಜನರಿಗೆ ಊಟಮಾಡಿಸಿದ್ದು.

(ಮತ್ತಾ. ೧೫.೩೨-೩೯)

೮ ೧ ಆ ದಿವಸಗಳಲ್ಲಿ ಜನರು ತಿರಿಗಿ ಗುಂಪುಕೂಡಿ ಬಂದಾಗ ಅವರಿಗೆ ಊಟಕ್ಕೆ ಏನೂ
ಇಲ್ಲದೆ ಇರಲು ಯೇಸು ತನ್ನ ಶಿಷ್ಯರನ್ನು ಹತ್ತರಕ್ಕೆ ಕರೆದು– ೨ ಈ ಜನರನ್ನು ನೋಡಿ
ಕನಿಕರಪಡುತ್ತೇನೆ, ಇವರು ನನ್ನ ಬಳಿಗೆ ಬಂದು ಮೂರು ದಿನವಾಯಿತು; ಇವರಿಗೆ ಊಟಕ್ಕೆ ಏನೂ
ಇಲ್ಲ; ೩ ಇವರನ್ನು ಉಪವಾಸವಾಗಿ ಮನೆಗೆ ಕಳುಹಿಸಿಬಿಟ್ಟರೆ ದಾರಿಯಲ್ಲಿ ಬಳಲಿ ಹೋಗುವರು;
ಇವರಲ್ಲಿ ಕೆಲವರು ದೂರದಿಂದ ಬಂದಿದ್ದಾರಲ್ಲಾ ಎಂದು ಅವರಿಗೆ ಹೇಳಿದ್ದಕ್ಕೆ ೪ ಶಿಷ್ಯರು–
ಈ ಅಡವಿಯಲ್ಲಿ ಎಲ್ಲಿಂದ ರೊಟ್ಟಿಯನ್ನು ತಂದು ಈ ಜನರನ್ನು ತೃಪ್ತಿಪಡಿಸುವದಕ್ಕಾದೀತು?
ಅಂದರು. ೫ ಆತನು—ನಿಮ್ಮಲ್ಲಿ ಎಷ್ಟು ರೊಟ್ಟಿಗಳಿವೆ ಎಂದು ಅವರನ್ನು ಕೇಳಿದ್ದಕ್ಕೆ ಅವರು–
ಏಳು ಅವೆ ಅಂದರು. ೬ ಆಗ ಆತನು ಜನರ ಗುಂಪಿಗೆ–ನೆಲದ ಮೇಲೆ ಕೂತುಕೊಳ್ಳಿರಿ ಎಂದು
ಅಪ್ಪಣೆಕೊಟ್ಟು ಆ ಏಳು ರೊಟ್ಟಿಗಳನ್ನು ತೆಗೆದುಕೊಂಡು ದೇವರ ಸ್ತೋತ್ರಮಾಡಿ ಅವುಗಳನ್ನು
ಮುರಿದು ಹಂಚುವದಕ್ಕಾಗಿ ತನ್ನ ಶಿಷ್ಯರ ಕೈಗೆ ಕೊಟ್ಟನು; ಅವರು ಗುಂಪಿನವರಿಗೆ ಹಂಚಿಕೊಟ್ಟರು.
೭ ಇದಲ್ಲದೆ ಅವರಲ್ಲಿ ಕೆಲವು ಸಣ್ಣ ಮೀನುಗಳಿದ್ದವು; ಅವುಗಳನ್ನು ಆತನು ತೆಗೆದುಕೊಂಡು
ದೇವರ ಸ್ತೋತ್ರಮಾಡಿ–ಇವುಗಳನ್ನೂ ಹಂಚಿಕೊಡಿರಿ. ೮ ಮಿಕ್ಕ ತುಂಡುಗಳನ್ನು ಕೂಡಿಸಲಾಗಿ ಏಳು
ಹೆಡಿಗೆ ಆದವು. ೯ ಊಟಮಾಡಿದವರು ಹೆಚ್ಚುಕಡಿಮೆ ನಾಲ್ಕುಸಾವಿರ ಮಂದಿ. ೧೦ ಬಳಿಕ ಆತನು
ಅವರನ್ನು ಕಳುಹಿಸಿಬಿಟ್ಟು ಕೂಡಲೆ ತನ್ನ ಶಿಷ್ಯರನ್ನು ಕರಕೊಂಡು ದೋಣಿಯನ್ನು ಹತ್ತಿದಲ್ಮನೂಥ
ಸೀಮೆಗೆ ಬಂದನು.

ಯೇಸು ಯೆಹೂದ್ಯ ಮತಾಭಿಮಾನಿಗಳ ವಿಷಯವಾಗಿ ಎಚ್ಚರಿಕೆ ಕೊಟ್ಟದ್ದು.

ಮತ್ತಾ. ೧೬.೧-೧೨; ಲೂಕ ೧೧. ೧೬; ೧೨.೧; ಯೋಹಾ. ೬.೩೦)

೧೧ ತರುವಾಯ ಫರಿಸಾಯರು ಹೊರಟುಬಂದು ಆತನ ಕೂಡ ತರ್ಕಮಾಡುತ್ತಾ
ಪರೀಕ್ಷಿಸುವದಕ್ಕಾಗಿ–ನೀನು ಆಕಾಶದಲ್ಲಿ ಒಂದು ಸೂಚಕಕಾರ್ಯವನ್ನು ತೋರಿಸಿ
ಕೊಡಬೇಕೆಂದು ಕೇಳುತ್ತಿರಲು ಆತನು ತನ್ನ ಆತ್ಮದಲ್ಲಿ ನೊಂದು ನಿಟ್ಟುಸುರುಬಿಟ್ಟು– ೧೨ ಈ
ಸಂತತಿಯು ಸೂಚಕಕಾರ್ಯವನ್ನು ಅಪೇಕ್ಷಿಸುವದು ಯಾಕೆ? ನಿಮಗೆ ಸತ್ಯವಾಗಿ ಹೇಳುತ್ತೇನೆ,
ಈ ಸಂತತಿಗೆ ಸೂಚಕ ಕಾರ್ಯವು ಸಿಕ್ಕುವದೇ ಇಲ್ಲ ಎಂದು ಹೇಳಿ ೧೩ ಅವರನ್ನು ಬಿಟ್ಟು ತಿರಿಗಿ
ದೋಣಿಯನ್ನು ಹತ್ತಿ ಆಚೇದಡಕ್ಕೆ ಹೋದನು.

೧೪ ಆದರೆ ಶಿಷ್ಯರು ರೊಟ್ಟೀಬುತ್ತಿ ಕಟ್ಟಿಕೊಳ್ಳುವದನ್ನು ಮರೆತರು. ದೋಣಿಯಲ್ಲಿ ಅವರಿಗೆ
ಒಂದು ರೊಟ್ಟಿ ಮಾತ್ರ ಇತ್ತು; ಬೇರೆ ಇರಲಿಲ್ಲ. ೧೫ ಯೇಸು ಅವರಿಗೆ–ಎಚ್ಚರಿಕೆ, ಫರಿಸಾಯರ
ಮತ್ತು ಹೆರೋದನ ಹುಳಿ ಹಿಟ್ಟಿನ ವಿಷಯದಲ್ಲಿ ನೋಡಿಕೊಳ್ಳಿರಿ ಎಂದು ಖಂಡಿತವಾಗಿ ಹೇಳಲು
೧೬ ಅವರು–ನಮ್ಮಲ್ಲಿ ರೊಟ್ಟಿಯಿಲ್ಲವಲ್ಲಾ ಎಂದು ತಮ್ಮತಮ್ಮೊಳಗೆ ಮಾತಾಡಿಕೊಳ್ಳುತ್ತಿದ್ದರು.
೧೭ ಆತನು ಅದನ್ನು ತಿಳಿದು-ರೊಟ್ಟಿಯಿಲ್ಲವಲ್ಲಾ ಎಂದು ಮಾತಾಡಿಕೊಳ್ಳುವದೇಕೆ? ನೀವು ಇನ್ನೂ
ಗ್ರಹಿಸಲಿಲ್ಲವೋ? ತಿಳುವಳಿಕೆ ಬರಲಿಲ್ಲವೋ? ೧೮ ನಿಮ್ಮ ಮನಸ್ಸು ಕಲ್ಲಾಗಿದೆಯೋ? ಕಣ್ಣಿದ್ದು
ಕಾಣುವದಿಲ್ಲವೋ? ಕಿವಿಯಿದ್ದೂ ಕೇಳುವದಿಲ್ಲವೋ? ನಿಮಗೆ ನೆನಪಿಲ್ಲವೋ? ೧೯ ನಾನು ಆ
ಐದು ರೊಟ್ಟಿಗಳನ್ನು ಮುರಿದು ಐದುಸಾವಿರ ಜನರಿಗೆ ಹಂಚಿಸಿದಾಗ ತುಂಡು ತುಂಬಿದ ಎಷ್ಟು
ಪುಟ್ಟಿಗಳನ್ನು ತೆಗೆದುಕೊಂಡು ಹೋದಿರಿ ಎಂದು ಕೇಳಿದ್ದಕ್ಕೆ ಅವರು–ಹನ್ನೆರಡು ಪುಟ್ಟಿ ಅಂದರು.
೨೦ ಮತ್ತು ಆ ಏಳು ರೊಟ್ಟಿಗಳನ್ನು ನಾಲ್ಕು ಸಾವಿರ ಜನರಿಗೆ ಹಂಚಿಸಿದಾಗ ತುಂಡು ತುಂಬಿದ ಎಷ್ಟು
ಹೆಡಿಗೆಗಳನ್ನು ತೆಗೆದುಕೊಂಡು ಹೋದಿರಿ ಎಂದು ಕೇಳಿದ್ದಕ್ಕೆ ಅವರು–ಏಳು ಹೆಡಿಗೆ ಅಂದರು.
೨೧ ಆಗ ಆತನು ಅವರಿಗೆ–ನಿಮಗೆ ಇನ್ನೂ ತಿಳುವಳಿಕೆ ಬರಲಿಲ್ಲವೇ? ಎಂದು ಹೇಳಿದನು.

ಯೇಸು ಕುರುಡನಿಗೆ ಕಣ್ಣುಕೊಟ್ಟದ್ದು.

೨೨ ಮತ್ತು ಅವರು ಬೇತ್ಸಾಯಿದ ಊರಿಗೆ ಬಂದರು. ಅಲ್ಲಿ ಜನರು ಒಬ್ಬ ಕುರುಡನನ್ನು ಯೇಸುವಿನ
ಬಳಿಗೆ ಕರಕೊಂಡುಬಂದು – ಇವನನ್ನು ಮುಟ್ಟಬೇಕು ಎಂದು ಆತನನ್ನು ಬೇಡಿಕೊಂಡರು. ೨೩ ಆತನು
ಕುರುಡನ ಕೈ ಹಿಡುಕೊಂಡು ಊರ ಹೊರಕ್ಕೆ ಕರಕೊಂಡು ಹೋಗಿ ಅವನ ಕಣ್ಣುಗಳಲ್ಲಿ ಉಗುಳಿ
ಅವನ ಮೇಲೆ ಕೈಯಿಟ್ಟು – ನಿನಗೇನಾದರೂ ಕಾಣುತ್ತದೆಯೋ? ಎಂದು ಅವನನ್ನು ಕೇಳೀದನು.
೨೪ ಅವನು ತಲೆಯೆತ್ತಿ ನೋಡಿ–ನನಗೆ ಜನರು ಕಾಣುತ್ತಾರೆ; ಅವರು ಮರಗಳಂತೆ ಕಾಣಿಸಿದರೂ

ತಿರುಗಾಡುತ್ತಾ ಇದ್ದಾರೆ ಅಂದನು. ೨೫ ಆಗ ಆತನು ಅವನ ಕಣ್ಣುಗಳ ಮೇಲೆ ತಿರಿಗಿ ಕೈಯಿಟ್ಟನು;
ಅವನು ಕಣ್ಣುಬಿಟ್ಟು ನೋಡಲು ನೋಡಲು ಅವನಿಗೆ ಗುಣವಾಗಿತ್ತು; ಎಲ್ಲವೂ ಸ್ಪಷ್ಟವಾಗಿ
ಕಲಾಣಿಸಿತು. ೨೬ ತರುವಾಯ ಆತನು–ನೀನು ಊರೊಳಕ್ಕೇನೂ ಹೋಗಬೇಡ ಎಂದು ಹೇಳಿ
ಅವನನ್ನು ಅವನ ಮನೆಗೆ ಕಳುಹಿಸಿಬಿಟ್ಟನು.

### ಪೇತ್ರನು ಯೇಸುವನ್ನು ಕ್ರಿಸ್ತನೆಂದು ಒಪ್ಪಿಕೊಂಡ ಮೇಲೆ ಯೇಸು ತನ್ನ ಮರಣವನ್ನೂ ತನ್ನ ಶಿಷ್ಯರಿಗೆ ಬರುವ ಕಷ್ಟಗಳನ್ನೂ ಮುಂದಾಗಿ ತಿಳಿಸಿದ್ದು.

(ಮತ್ತಾ. ೧೬.೧೩-೨೮; ಲೂಕ. ೯. ೧೮–೨೭)

೨೭ ಯೇಸುವೂ ಆತನ ಶಿಷ್ಯರೂ ಫಿಲಿಪ್ಪನ ಕೈಸರೈಯ ಎಂಬ ಪಟ್ಟಣಕ್ಕೆ ಸೇರಿದ ಗ್ರಾಮಗಳಿಗೆ
ಹೊರಟರು. ದಾರಿಯಲ್ಲಿ ಆತನು–ಜನರು ನನ್ನನ್ನು ಯಾರು ಅನ್ನುತ್ತಾರೆ ಎಂದು ತನ್ನ ಶಿಷ್ಯರನ್ನು
ಕೇಳಿದ್ದಕ್ಕೆ ೨೮ ಅವರು–ನಿನ್ನನ್ನು ಕೆಲವರು ಸ್ನಾನಿಕನಾದ ಯೋಹಾನನು ಅನ್ನುತ್ತಾರೆ; ಕೆಲವರು
ಎಲೀಯನು ಅನ್ನುತ್ತಾರೆ; ಇನ್ನು ಕೆಲವರು ಪ್ರವಾದಿಗಳಲ್ಲಿ ಒಬ್ಬನು ಅನ್ನುತ್ತಾರೆ ಎಂದು ಹೇಳಿದರು.
೨೯ ಆತನು ಅವರನ್ನು–ಆದರೆ ನೀವು ನನ್ನನ್ನು ಯಾರನ್ನುತ್ತೀರಿ? ಎಂದು ಕೇಳಲಾಗಿ ಪೇತ್ರನು–
ನೀನು ಬರಬೇಕಾಗಿರುವ ಕ್ರಿಸ್ತನು ಎಂದು ಉತ್ತರಕೊಟ್ಟನು. ೩೦ ಅದಕ್ಕೆ ಆತನು–ನನ್ನ ವಿಷಯವಾಗಿ
ಯಾರಿಗೂ ಹೇಳಬೇಡಿರಿ ಎಂದು ಅವರಿಗೆ ಖಂಡಿತವಾಗಿ ಹೇಳಿದನು. ೩೧ ಇದಲ್ಲದೆ ಆತನು–
ಮನುಷ್ಯಕುಮಾರನು ಬಹು ಕಷ್ಟಗಳನ್ನನುಭವಿಸಿ ಹಿರಿಯರಿಂದಲೂ ಮಹಾಯಾಜಕರಿಂದಲೂ
ಶಾಸ್ತ್ರಿಗಳಿಂದಲೂ ನಿರಾಕೃತನಾಗಿ ಕೊಲ್ಲಲ್ಪಟ್ಟು ಮೂರು ದಿನದ ಮೇಲೆ ಜೀವಿತನಾಗಿ ಎದ್ದು
ಬರಬೇಕಾಗಿದೆ ಎಂದು ಉಪದೇಶಮಾಡುವದಕ್ಕೆ ಪ್ರಾರಂಭಮಾಡಿದನು. ೩೨ ಆತನು ಈ ಮಾತನ್ನು
ಏನೂ ಗುಂಬವಿಲ್ಲದೆ ಹೇಳಿದನು. ಆಗ ಪೇತ್ರನು ಆತನ ಕೈ ಹಿಡಿದು ಆತನನ್ನು ಗದರಿಸುವದಕ್ಕೆ
ಪ್ರಾರಂಭಿಸಲು ೩೩ ಆತನು ಹಿಂತಿರುಗಿಕೊಂಡು ತನ್ನ ಶಿಷ್ಯರನ್ನು ನೋಡಿ ಪೇತ್ರನಿಗೆ–
ಸೈತಾನನೇ, ನನ್ನ ಮುಂದೆ ನಿಲ್ಲಬೇಡ, ನಡೆ, ನಿನ್ನ ಯೋಚನೆ ಮನುಷ್ಯರ ಯೋಚನೆಯೇ
ಹೊರತು ದೇವರದಲ್ಲ ಎಂದು ಗದರಿಸಿ ಹೇಳಿದನು.

೩೪ ಆ ಮೇಲೆ ಆತನು ತನ್ನ ಶಿಷ್ಯರ ಜೊತೆಗೆ ಜನರ ಗುಂಪನ್ನೂ ಹತ್ತಿರ ಕರೆದು ಅವರಿಗೆ
ಹೇಳಿದ್ದೇನಂದರೆ– ಯಾವನಿಗಾದರೂ ನನ್ನ ಹಿಂದೆ ಬರುವದಕ್ಕೆ ಮನಸ್ಸಿದ್ದರೆ ಅವನು
ತನ್ನನ್ನು ನಿರಾಕರಿಸಿ ತನ್ನ ಶಿಲುಬೆಯನ್ನು ಹೊತ್ತುಕೊಂಡು ನನ್ನ ಹಿಂದೆ ಬರಲಿ. ೩೫ ತನ್ನ
ಪ್ರಾಣವನ್ನು ಉಳಿಸಿಕೊಳ್ಳಬೇಕೆಂದಿರುವವನು ಅದನ್ನು ಕಳಕೊಳ್ಳುವನು; ಆದರೆ ನನ್ನ
ನಿಮಿತ್ತವಾಗಿಯೂ ಸುವಾರ್ತೆಯ ನಿಮಿತ್ತವಾಗಿಯೂ ತನ್ನ ಪ್ರಾಣವನ್ನು ಕಳಕೊಂಡವನು
ಅದನ್ನು ಉಳಿಸಿಕೊಳ್ಳುವನು. ೩೬ ಒಬ್ಬ ಮನುಷ್ಯನು ಲೋಕವನ್ನೆಲ್ಲಾ ಸಂಪಾದಿಸಿಕೊಂಡರೂ
ಪ್ರಾಣನಷ್ಟಪಟ್ಟರೆ ಅವನಿಗೆ ಪ್ರಯೋಜನವೇನು? ೩೭ ಒಬ್ಬನು ತನ್ನ ಪ್ರಾಣಕ್ಕೆ ಏನು ಈಡು
ಕೊಡಬಹುದು? ೩೮ ವ್ಯಭಿಚಾರಿಣಿಯಂತಿರುವ ಈ ಪಾಪಿಷ್ಠ ಸಂತತಿಯಲ್ಲಿ ಯಾವನು ನನಗೂ
ನನ್ನ ಮಾತುಗಳಿಗೂ ನಾಚಿಕೊಳ್ಳುತ್ತಾನೋ ಅವನಿಗೆ ಮನುಷ್ಯಕುಮಾರನು, ತಾನು ತನ್ನ
ತಂದೆಯ ಪ್ರಭಾವದೊಡನೆ ಪರಿಶುದ್ಧ ದೇವದೂತರ ಸಮೇತವಾಗಿ ಬರುವಾಗ ನಾಚಿಕೊಳ್ಳುವನು
ಅಂದನು.

೯ ೧ ಮತ್ತು ಅವರಿಗೆ–ನಿಮಗೆ ನಿಜವಾಗಿ ಹೇಳುತ್ತೇನೆ, ಇಲ್ಲಿ ನಿಂತಿರುವವರೊಳಗೆ
ಕೆಲವರು ದೇವರ ರಾಜ್ಯವು ಪ್ರಬಲವಾಗಿ ಬಂದಿರುವದನ್ನು ನೋಡುವ ತನಕ ಮರಣ
ಹೊಂದುವದಿಲ್ಲವೆಂದು ಹೇಳಿದನು.

### ಯೇಸು ಪ್ರಕಾಶರೂಪವುಳ್ಳವನಾದದ್ದು.

(ಮತ್ತಾ. ೧೭.೧—೧೩; ಲೂಕ. ೯.೨೮-೩೬)

೨ ಆರು ದಿವಸಗಳಾದ ಮೇಲೆ ಯೇಸು ಪೇತ್ರ ಯಾಕೋಬ ಯೋಹಾನರನ್ನು ಮಾತ್ರ
ವಿಂಗಡವಾಗಿ ಕರಕೊಂಡು ಎತ್ತರವಾದ ಬೆಟ್ಟಕ್ಕೆ ಹೋದನು. ಅಲ್ಲಿ ಅವರ ಕಣ್ಣ ಮುಂದೆ
ಆತನ ರೂಪ ಬೇರೆಯಾಯಿತು. ೩ ಆತನ ವಸ್ತ್ರಗಳು ಬಹು ಬೆಳ್ಳಗೆ ಹೊಳೆಯುತ್ತಿದ್ದವು;
ಭೂಲೋಕದಲ್ಲಿರುವ ಯಾವ ಅಗಸನಾದರೂ ಅಷ್ಟು ಬೆಳ್ಳಗೆ ಮಾಡಲಾರನು. ೪ ಇದಲ್ಲದೆ
ಎಲೀಯನೂ ಮೋಶೆಯೂ ಅವರಿಗೆ ಕಾಣಿಸಿಕೊಂಡು ಯೇಸುವಿನ ಸಂಗಡ ಮಾತಾಡುತ್ತಿದ್ದರು.
೫ ಆಗ ಪೇತ್ರನು ಯೇಸುವಿಎ–ಗುರುವೇ, ನಾವು ಇಲ್ಲೇ ಇರುವದು ಒಳ್ಳೇದು; ಮೂರು
ಪರ್ಣಶಾಲೆಗಳನ್ನು ಕಟ್ಟುವೆವು; ನಿನಗೊಂದು ಮೋಶೆಗೊಂದು ಎಲೀಯನಿಗೊಂದು ಎಂದು

ಹೇಳಿದನು. ೬ ಏನು ಹೇಳಬೇಕೋ ತಿಳಿಯದೆ ಹೀಗೆ ಮಾತಾಡಿದನು. ಅವರು ಬಹಳವಾಗಿ
ಹೆದರಿಕೊಂಡಿದ್ದರು. ೭ ಅಷ್ಟರಲ್ಲಿ ಮೋಡವು ಬಂದು ಅವರ ಮೇಲೆ ಕವಿಯಿತು. ಆ
ಮೋಡದೊಳಗಿಂದ-ಈತನು ಪ್ರಿಯನಾಗಿರುವ ನನ್ನ ಮಗನು; ಈತನ ಮಾತನ್ನು ಕೇಳಿರಿ ಎಂದು
ಆಕಾಶವಾಣಿ ಆಯಿತು. ೮ ಫಕ್ಕನೆ ಅವರು ಸುತ್ತಲೂ ನೋಡಿದಾಗ ತಮ್ಮ ಸಂಗಡ ಯೇಸುವನ್ನೇ
ಹೊರತು ಆಗಿನಿಂದ ಮತ್ತಾರನ್ನೂ ಕಾಣಲಿಲ್ಲ.
೯ ಅವರು ಆ ಬೆಟ್ಟದಿಂದ ಇಳಿದು ಬರುತ್ತಿರುವಾಗ ಆತನು ಅವರಿಗೆ-ನೀವು ಕಂಡಿರುವದನ್ನು
ಮನುಷ್ಯಕುಮಾರನು ಸತ್ತು ಜೀವಿತನಾಗಿ ಎದ್ದು ಬರುವತನಕ ಯಾರಿಗೂ ತಿಳಿಸಬಾರದೆಂದು
ಖಂಡಿತವಾಗಿ ಹೇಳಿದನು. ೧೦ ಅವರು ಈ ಮಾತನ್ನು ಹಿಡಿದು ಸತ್ತುಜೀವಿತನಾಗಿ
ಏಳುವದಂದರೇನು ಎಂದು ತಮ್ಮತಮ್ಮೊಳಗೆ ಮಾತಾಡಿಕೊಂಡರು. ೧೧ ಇದಲ್ಲದೆ ಅವರು—
ಎಲೀಯನು ಮೊದಲು ಬರುವದು ಅಗತ್ಯವೆಂಬದಾಗಿ ಶಾಸ್ತ್ರಿಗಳು ಹೇಳುತ್ತಾರಲ್ಲಾ, ಇದು
ಹೇಗೆ? ಎಂದು ಆತನನ್ನು ಕೇಳಿದ್ದಕ್ಕೆ ೧೨ ಆತನು-ಎಲೀಯನು ಮೊದಲು ಬಂದು ಎಲ್ಲವನ್ನು
ತಿರಿಗಿ ಸರಿಮಾಡುವದು ನಿಜ. ಮತ್ತು ಮನುಷ್ಯ ಕುಮಾರನ ವಿಷಯವಾಗಿ-ಅವನು ಬಹು
ಕಷ್ಟಗಳನ್ನನುಭವಿಸಿ ಹೀನೈಸಲ್ಪಡಬೇಕೆಂಬದಾಗಿ ಬರೆದದೆ, ಇದು ಹೇಗೆ? ೧೩ ಆದರೆ ನಾನು
ನಿಮಗೆ ಹೇಳುವದೇನಂದರೆ-ಎಲೀಯನು ಬಂದನು; ಮತ್ತು ಅವನ ವಿಷಯವಾಗಿ ಬರೆದಿರುವ
ಪ್ರಕಾರ ಜನರು ತಮ್ಮ ಮನಸ್ಸಿಗೆ ಬಂದಂತೆ ಅವನಿಗೆ ಮಾಡಿದರು ಅಂದನು.

### ಯೇಸು ಮೂರ್ಛಾರೋಗಿಯನ್ನು ಸ್ವಸ್ಥಮಾಡಿದ್ದು.

(ಮತ್ತಾ. ೧೭:೧೪-೨೧; ಲೂಕ. ೯.೩-೪೨)

೧೪ ತರುವಾಯ ಅವರು (ಉಳಿದ) ಶಿಷ್ಯರ ಬಳಿಗೆ ಬಂದು ಅವರ ಸುತ್ತಲು ಜನರ ದೊಡ್ಡ
ಗುಂಪು ಇರುವದನ್ನೂ ಅವರ ಸಂಗಡ ಶಾಸ್ತ್ರಿಗಳು ತರ್ಕಮಾಡುವದನ್ನೂ ಕಂಡರು. ೧೫ ಕೂಡಲೆ
ಆ ಗುಂಪಿನವರೆಲ್ಲರು ಯೇಸುವನ್ನು ಕಂಡು ಬಹು ಆಶ್ಚರ್ಯಪಟ್ಟು ಆತನ ಬಳಿಗೆ ಓಡಿಬಂದು
ಆತನನ್ನು ವಂದಿಸಿದರು. ೧೬ ಆತನು ಶಾಸ್ತ್ರಿಗಳನ್ನು-ಇವರ ಸಂಗಡ ಏನು ತರ್ಕಮಾಡುತ್ತೀರಿ?
ಎಂದು ಕೇಳಿದ್ದಕ್ಕೆ ೧೭ ಆ ಗುಂಪಿನಲ್ಲಿ ಒಬ್ಬನು-ಬೋಧಕನೇ, ನನ್ನ ಮಗನನ್ನು ನಿನ್ನ ಬಳಿಗೆ
ಕರಕೊಂಡು ಬಂದೆನು; ೧೮ ಅವನಿಗೊಂದು ಮೂಗದೆವ್ವ ಹಿಡಿದದೆ; ಅದು ಎಲ್ಲಿ ಅವನ
ಮೇಲೆ ಬಂದರೂ ಅವನನ್ನು ಕೆಡವುತ್ತದೆ; ಆಗ ಅವನು ನೊರೆಸುರಿಸುತ್ತಾ ಕರಕರನೆ ಹಲ್ಲು
ಕಡಿಯುತ್ತಾ ಕುಂದಿಹೋಗುತ್ತಾನೆ. ಅದನ್ನು ಬಿಡಿಸಬೇಕೆಂದು ನಿನ್ನ ಶಿಷ್ಯರಿಗೆ ಹೇಳಿಕೊಂಡೆ;
ಅವರ ಕೈಯಿಂದ ಆಗದೆಹೋಯಿತು ಎಂದು ಉತ್ತರ ಕೊಟ್ಟನು. ೧೯ ಅದಕ್ಕಾತನು-ಎಲ್ಲಾ,
ನಂಬಿಕೆಯಿಲ್ಲದಂಥ ಸಂತಾನವೇ, ನಾನು ಇನ್ನೆಷ್ಟು ದಿನ ನಿಮ್ಮ ಸಂಗಡ ಇರಲಿ? ಇನ್ನೆಷ್ಟು
ದಿನ ನಿಮ್ಮನ್ನು ಸಹಿಸಿಕೊಳ್ಳಲಿ? ಅವನನ್ನು ನನ್ನ ಬಳಿಗೆ ತೆಗೆದುಕೊಂಡು ಬನ್ನಿ, ೨೦ ಅನ್ನಲು
ಅವನನ್ನು ಆತನ ಬಳಿಗೆ ತೆಗೆದುಕೊಂಡುಬಂದರು. ಆತನನ್ನು ಕಂಡಕೂಡಲೆ ಆ ದೆವ್ವವು ಅವನನ್ನು
ಬಹಳವಾಗಿ ಒದ್ದಾಡಿಸಲು ಅವನು ನೆಲಕ್ಕೆ ಬಿದ್ದು ನೊರೆಸುರಿಸುತ್ತಾ ಹೊರಳಾಡಿದನು.
೨೧ ಯೇಸು ಅವನ ತಂದೆಯನ್ನು-ಇದು ಇವನಿಗೆ ಬಂದು ಎಷ್ಟು ದಿನವಾಯಿತು ಎಂದು
ಕೇಳಿದಾಗ ಅವನು- ಚಿಕ್ಕಂದಿನಲ್ಲಿಯೇ ಬಂದಿದೆ; ೨೨ ಮತ್ತು ಇವನನ್ನು ಕೊಲ್ಲಬೇಕೆಂದು ಆಗಾಗ್ಗೆ
ಬೆಂಕಿಯಲ್ಲಿಯೂ ನೀರಿನಲ್ಲಿಯೂ ಕೆಡವಿತು; ನಿನ್ನ ಕೈಲಿ ಏನಾದರೂ ಆಗುವ ಹಾಗಿದ್ದರೆ ನಮ್ಮ
ಮೇಲೆ ಕರುಣವಿಟ್ಟು ನಮಗೆ ಸಹಾಯಮಾಡು ಅಂದನು. ೨೩ ಯೇಸು ಅವನಿಗೆ-ನಿನ್ನ ಕೈಲಿ
ಆಗುವ ಹಾಗಿದ್ದರೆ ಅನ್ನುತ್ತೀಯೋ? ನಂಬುವವನಿಗೆ ಎಲ್ಲಾ ಆಗುವದು ಎಂದು ಹೇಳಿದನು.
೨೪ ಕೂಡಲೆ ಆ ಹುಡುಗನ ತಂದೆಯು-ನಂಬುತ್ತೇನೆ, ನನಗೆ ನಂಬಿಕೆ ಕಡಿಮೆಯಾಗಿದ್ದರೂ
ಸಹಾಯಮಾಡು ಎಂದು ಕೂಗಿ ಹೇಳಿದನು. ೨೫ ಆಗ ಯೇಸು ಜನರ ಗುಂಪು ಓಡಿಬರುವದನ್ನು
ಕಂಡು ಆ ದೆವ್ವವನ್ನು ಗದರಿಸಿ-ಎಲೇ, ಕಿವುಡಾದ ಮೂಗದೆವ್ವವೇ, ಇವನನ್ನು ಬಿಟ್ಟು ಹೋಗು;
ಇನ್ನು ಮುಂದೆ ಹಿಡಿಯ ಬೇಡವೆಂದು ನಾನು ನಿನಗೆ ಅಪ್ಪಣೆಕೊಡುತ್ತೇನೆ ಅಂದನು. ೨೬ ಆಗ
ಅದು ಅಬ್ಬರಿಸಿ ಅವನನ್ನು ಒದ್ದಾಡಿಸಿ ಬಿಟ್ಟುಹೋಯಿತು. ಆ ಹುಡುಗನು ಸತ್ತಹಾಗೆ ಬಿದ್ದಿದ್ದರಿಂದ
ಬಹುಜನರು-ಸತ್ತುಹೋದ ಅಂದರು. ೨೭ ಆದರೆ ಯೇಸು ಅವನನ್ನು ಕೈಹಿಡಿದು ಎಬ್ಬಿಸಲು ಅವನು
ಎದ್ದು ನಿಂತನು. ೨೮ ಯೇಸು ಮನೆಗೆ ಬಂದಾಗ ಆತನ ಶಿಷ್ಯರು-ಅದನ್ನು ಬಿಡಿಸಲಿಕ್ಕೆ ನಮ್ಮಿಂದ
ಯಾಕೆ ಆಗಲಿಲ್ಲವೆಂದು ಆತನನ್ನು ಏಕಾಂತದಲ್ಲಿ ಕೇಳಲು ೨೯ ಆತನು-ಈ ಜಾತಿಯು ದೇವರ
ಪ್ರಾರ್ಥನೆಯಿಂದಲೇ ಹೊರತು ಬೇರೆ ಯಾತರಿಂದಲೂ ಬಿಟ್ಟು ಹೋಗುವದಿಲ್ಲವೆಂದು ಅವರಿಗೆ
ಹೇಳಿದನು.

### ಯೇಸು ತನ್ನ ಮರಣ ಪುನರುತ್ಥಾನಗಳನ್ನು ಎರಡನೆಯ ಸಾರಿ ಮುಂದಾಗಿ ತಿಳಿಸಿದ್ದು.

(ಮತ್ತಾ. ೧೭.೨೨,೨೩; ಲೂಕ. ೯.೪೩-೪೫)

೩೦ ಅಲ್ಲಿಂದ ಅವರು ಹೊರಟು ಗಲಿಲಾಯವನ್ನು ಹಾದು ಹೋಗುತ್ತಿದ್ದರು. ಇದು ಜನರಿಗೆ
ಗೊತ್ತಾಗಬಾರದೆಂದು ಆತನಿಗೆ ಮನಸ್ಸಿತ್ತು. ೩೧ ಯಾಕಂದರೆ ಆತನು ತನ್ನ ಶಿಷ್ಯರಿಗೆ
ಉಪದೇಶಮಾಡುತ್ತಾ-ಮನುಷ್ಯಕುಮಾರನು ಜನರ ಕೈಗೆ ಒಪ್ಪಿಸಲ್ಪಡುತ್ತಾನೆ; ಅವರು ಅವನನ್ನು
ಕೊಲ್ಲುವರು; ಕೊಂದ ಮೂರುದಿನದ ಮೇಲೆ ಆತನು ಜೀವಿತನಾಗಿ ಎದ್ದು ಬರುವನೆಂದು
ಹೇಳಿದನು. ೩೨ ಅವರು ಆ ಮಾತನ್ನ ಗ್ರಹಿಸಲಿಲ್ಲ, ಆದರೆ ಆತನನ್ನು ಕೇಳುವದಕ್ಕೆ ಅಂಜಿದರು.

### ಯೇಸು ತನ್ನ ಶಿಷ್ಯರಿಗೆ ದೀನಭಾವ ಇರಬೇಕೆಂತಲೂ ಪಾಪದಲ್ಲಿ ಸಿಕ್ಕಿಸುವಂಥದನ್ನು ತೆಗೆದುಹಾಕಬೇಕೆಂತಲೂ ಬೋಧಿಸಿದ್ದು.

(ಮತ್ತಾ. ೧೮:೧-೯; ಲೂಕ. ೯.೪೬-೫೦)

೩೩ ಮತ್ತು ಅವರು ಕಪೆರ್ನೌಮಿಗೆ ಬಂದರು. ಅಲ್ಲಿ ಆತನು ಮನೆಯಲ್ಲಿದ್ದಾಗ-ನೀವು
ದಾರಿಯಲ್ಲಿ ಏನು ಮಾತಾಡಿಕೊಳ್ಳುತ್ತಿದ್ದಿರಿ ಎಂಧು ಶಿಷ್ಯರನ್ನು ಕೇಳಲು ಅವರು ಸುಮ್ಮನಿದ್ದರು;
೩೪ ಯಾಕಂದರೆ ಅವರು ದಾರಿಯಲ್ಲಿ ಒಬ್ಬರಕೂಡೊಬ್ಬರು-(ತಮ್ಮಲ್ಲಿ) ಯಾವನು ಹೆಚ್ಚಿನವನೆಂದು
ವಾಗ್ವಾದಮಾಡಿಕೊಂಡಿದ್ದರು. ೩೫ ಆತನು ಕೂತುಕೊಂಡು ತನ್ನ ಹನ್ನೆರಡು ಮಂದಿ ಶಿಷ್ಯರನ್ನು ಕರೆದು
ಅವರಿಗೆ-ಯಾವನಾದರೂ ಮೊದಲಿನವನಾಗ ಬೇಕೆಂದಿದ್ದರೆ ಅವನು ಎಲ್ಲರಲ್ಲಿ ಕಡೆಯವನೂ
ಎಲ್ಲರ ಆಳೂ ಆಗಿರಬೇಕು ಎಂದು ಹೇಳಿ ೩೬ ಒಂದು ಚಿಕ್ಕ ಮಗುವನ್ನು ತೆಗೆದುಕೊಂಡು
ಅವರ ನಡುವೆ ನಿಲ್ಲಿಸಿ ಅಪ್ಪಿಕೊಂಡು ಅವರಿಗೆ- ೩೭ ಯಾವನಾದರೂ ನನ್ನ ಹೆಸರಿನಲ್ಲಿ
ಇಂಥ ಚಿಕ್ಕ ಮಕ್ಕಳಲ್ಲಿ ಒಂದನ್ನು ಸೇರಿಸಿ ಕೊಂಡರೆ ನನ್ನನ್ನು ಸೇರಿಸಿಕೊಂಡ ಹಾಗಾಯಿತು;
ಮತ್ತು ಯಾವನಾದರೂ ನನ್ನನ್ನು ಸೇರಿಸಿಕೊಂಡರೆ ನನ್ನನ್ನಲ್ಲ, ನನ್ನನ್ನು ಕಳುಹಿಸಿಕೊಟ್ಟಾತನನ್ನೇ
ಸೇರಿಸಿಕೊಂಡ ಹಾಗಾಯಿತು ಎಂದು ಹೇಳಿದನು.

೩೮ ಯೋಹಾನನು ಆತನಿಗೆ-ಬೋಧಕನೇ, ಯಾವನೋ ಒಬ್ಬನು ನಿನ್ನ ಹೆಸರನ್ನು ಹೇಳಿ
ದೆವ್ವಬಿಡಿಸುವದನ್ನು ನಾವು ಕಂಡು ಅವನು ನಮಗೆ ಸೇರಿದವನಲ್ಲವಾದ್ದರಿಂದ ಅವನಿಗೆ
ಅಡ್ಡಿಮಾಡಿದೆವು ಎಂದು ಹೇಳಲಾಗಿ ಯೇಸು-ಅವನಿಗೆ ಅಡ್ಡಿಮಾಡಬೇಡಿರಿ; ೩೯ ನನ್ನ
ಹೆಸರಿನ ಮೇಲೆ ಮಹತ್ತನ್ನು ಮಾಡಿ ಏಕಾಏಕಿ ನನ್ನನ್ನು ದೂಷಿಸುವವನು ಒಬ್ಬನೂ ಇಲ್ಲ.
೪೦ ನಮ್ಮನ್ನು ಎದುರಿಸದವನು ನಮ್ಮ ಪಕ್ಷದವನೇ. ೪೧ ನೀವು ಕ್ರಿಸ್ತನವರೆಂದು ನಿಮಗೆ
ಯಾವನಾದರೂ ಒಂದು ತಂಬಿಗೆ ನೀರನ್ನು ಕುಡಿಯುವದಕ್ಕೆ ಕೊಟ್ಟರೆ ಬರತಕ್ಕ ಪ್ರತಿಫಲವು
ಅವನಿಗೆ ತಪ್ಪುವದೇ ಇಲ್ಲವೆಂದು ನಿಮಗೆ ಸತ್ಯವಾಗಿ ಹೇಳುತ್ತೇನೆ. ೪೨ ಮತ್ತು ನಂಬುವ ಈ
ಚಿಕ್ಕವರಲ್ಲಿ ಒಬ್ಬನಿಗೆ ಯಾವನಾದರೂ ಅಡ್ಡಿಯಾದರೆ ಅಂಥವನ ಕೊರಳಿಗೆ ಬೀಸುವ ಕಲ್ಲು ಕಟ್ಟಿ
ಅವನನ್ನು ಸಮುದ್ರದಲ್ಲಿ ಹಾಕಿದರೂ ಅವನಿಗೆ ಲೇಸು. ೪೩ ಇದಲ್ಲದೆ ನಿನ್ನ ಕೈ ನಿನ್ನನ್ನು ಪಾಪದಲ್ಲಿ
ಸಿಕ್ಕಿಸುವದಾದರೆ ಅದನ್ನು ಕತ್ತರಿಸಿಬಿಡು; ಎರಡು ಕೈಯುಳ್ಳವನಾಗಿದ್ದು ಆರದ ಬೆಂಕಿಯಾಗಿರುವ
ನರಕದಲ್ಲಿ ಬೀಳುವದಕ್ಕಿಂತ ಕೈಕಳಕೊಂಡವನಾಗಿ ಜೀವದಲ್ಲಿ ಸೇರುವದು ನಿನಗೆ ಉತ್ತಮ.
೪೪ ೪೫ ಮತ್ತು ನಿನ್ನ ಕಾಲು ನಿನ್ನನ್ನು ಪಾಪದಲ್ಲಿ ಸಿಕ್ಕಿಸುವದಾದರೆ ಅದನ್ನು ಕಡಿದುಬಿಡು; ಎರಡು
ಕಾಲುಳ್ಳವನಾಗಿದ್ದು ನರಕದಲ್ಲಿ ಹಾಕಿಸಿ ಕೊಳ್ಳುವದಕ್ಕಿಂತ ಕಾಲುಕಳಕೊಂಡವನಾಗಿ ಜೀವದಲ್ಲಿ
ಸೇರುವದು ನಿನಗೆ ಉತ್ತಮ. ೪೬ ೪೭ ನಿನ್ನ ಕಣ್ಣು ನಿನ್ನನ್ನು ಪಾಪದಲ್ಲಿ ಸಿಕ್ಕಿಸುವದಾದರೆ ಅದನ್ನು
ಕಿತ್ತುಬಿಸಾಡು; ಎರಡು ಕಣ್ಣುಳ್ಳವನಾಗಿದ್ದು ನರಕದಲ್ಲಿ ಹಾಕಿಸಿ ಕೊಳ್ಳುವದಕ್ಕಿಂತ ಒಂದೇ
ಕಣ್ಣುಳ್ಳವನಾಗಿದ್ದು ದೇವರ ರಾಜ್ಯದಲ್ಲಿ ಸೇರುವದು ನಿನಗೆ ಉತ್ತಮ. ೪೮ ನರಕದಲ್ಲಿ ಅವರನ್ನು
ಕಡಿಯುವ ಹುಳ ಸಾಯುವದಿಲ್ಲ, ಬೆಂಕಿ ಆರುವದಿಲ್ಲ. ೪೯ ಪ್ರತಿಯೊಬ್ಬನಿಗೂ ಬೆಂಕಿಯೆಂಬ
ಉಪ್ಪಿನ ಹದವು ಕೊಡಲ್ಪಡಬೇಕು. ೫೦ ಉಪ್ಪು ಒಳ್ಳೆಯ ಪದಾರ್ಥವೇ; ಉಪ್ಪು ಸಪ್ಪೆಯಾದರೆ
ಅದನ್ನು ಇನ್ನ್ಯಾತರಿಂದ ರುಚಿಗೊಳಿಸುವಿರಿ? ನಿಮ್ಮೊಳಗೆ ಉಪ್ಪು ಇರಲಿ, ಒಬ್ಬಿರಿಗೊಬ್ಬರು
ಸಮಾಧಾನದಿಂದಿರಿ.

### ಹೆಂಡತಿಯ ಪರಿತ್ಯಾಗದ ವಿಷಯವಾಗಿ ಯೇಸು ಉತ್ತರ ಕೊಟ್ಟದ್ದು.

(ಮತ್ತಾ ೧೯. ೧-೯ ; ಲೂಕ೧೬.೧೮)

೧೦ ೧ ಅಲ್ಲಿಂದ ಆತನು ಎದ್ದು ಯೂದಾಯ ಪ್ರಾಂತಕ್ಕೂ ಯೋರ್ದಾನ ಹೊಳೆಯ ಆಚೆಯ
ಸೀಮೆಗೂ ಬಂದನು. ಅಲ್ಲಿ ಜನರು ತಿರಿಗಿ ಗುಂಪುಗುಂಪಾಗಿ ಆತನ ಬಳಿಗೆ ಕೂಡಿ ಬರಲು
ಆತನು ತಿರಿಗಿ ಎಂದಿನಂತೆ ಅವರಿಗೆ ಉಪದೇಶಮಾಡುತ್ತಿದ್ದನು. ೨ ಆಗ ಫರಿಸಾಯರು ಆತನ
ಹತ್ತಿರಕ್ಕೆ ಬಂದು ಆತನನ್ನು ಪರೀಕ್ಷಿಸಬೇಕೆಂಬ ಯೋಚನೆಯಿಂದ – ಒಬ್ಬನು ಹೆಂಡತಿಯನ್ನು
ಬಿಟ್ಟುಬಿಡುವದು ಧರ್ಮವೋ ಹೇಗೆ ಎಂದು ಕೇಳಿದನು, ೩ ಆತನು ಅದಕ್ಕೆ – ಮೋಶೆ
ನಿಮಗೆ ಏನು ಆಜ್ಞೆ ಕೊಟ್ಟನು? ಅನ್ನಲಾಗಿ ೪ ಅವರು ತ್ಯಾಗಪತ್ರವನ್ನು ಬರೆದು ಕೊಟ್ಟು ಆಕೆಯನ್ನು
ಬಿಟ್ಟುಬಿಡಬಹುದೆಂದು ಮೋಶೆಯು ಮೋಶೆಯು ಅಪ್ಪಣೆ ಕೊಟ್ಟನು ಅಂದರು.
ಮನುಷ್ಯರನ್ನು ನಿರ್ಮಾಣಮಾಡಿದವನು ಆದಿಯಿಂದಲೇ ಅವರನ್ನು ಗಂಡುಹೆಣ್ಣಾಗಿ ನಿರ್ಮಿಸಿ,
೫ ಆದರೆ ಯೇಸು ಅವರಿಗೆ – ಅವನು – ನಿಮ್ಮ ಮೊಂಡುತನವನ್ನು ನೋಡಿ ನಿಮಗೆ ಇಂಥಾ
ಆಜ್ಞೆಯನ್ನು ಬರೆದಿಟ್ಟನು ೬ ದೇವರಾದರೋ ಸೃಷ್ಟಿಯ ಮೊದಲಿನಿಂದಲೇ ಮನುಷ್ಯರನ್ನು
ಗಂಡುಹೆಣ್ಣಾಗಿ ನಿರ್ಮಿಸಿದನೆಂತಲೂ ೭ ಈ ಕಾರಣದಿಂದ ಪುರುಷನು ತನ್ನ ತಂದೆತಾಯಿಗಳನ್ನು
ಬಿಟ್ಟು ತನ್ನ ಹೆಂತಿಯನ್ನು ಸೇರಿಕೊಂಡು ಅವರಿಬ್ಬರು ಒಂದೇ ಶರೀರವಾಗುವರೆಂತಲೂ
ಬರೆದಿದೆ. ೮ ಹೀಗಿರುವಲ್ಲಿ ಅವರು ಇನ್ನು ಇಬ್ಬರಲ್ಲ ಒಂದೇ ಶರೀರವಾಗಿದ್ದಾರೆ. ೯ ಆದದರಿಂದ
ದೇವರು ಕೂಡಿಸಿದ್ದನ್ನು ಮನುಷ್ಯನು ಅಗಲಿಸಬಾರದು ಎಂದು ಹೇಳಿದನು. ೧೦ ಮನೆಯಲ್ಲಿ
ಆತನ ಶಿಷ್ಯರು ಈ ವಿಷಯವಾಗಿ ಆತನನ್ನು ತಿರಿಗಿ ಕೇಳಿದಾಗ ಆತನು ಅವರಿಗೆ- ೧೧ ತನ್ನ
ಹೆಂಡತಿಯನ್ನು ಬಿಟ್ಟು ಮತ್ತೊಬ್ಬಳನ್ನು ಮದುವೆ ಮಾಡಿಕೊಳ್ಳುವವನು ತನ್ನ ಹೆಂಡತಿಗೆ ದ್ರೋಹಿ
ಯಾಗಿ ವ್ಯಬಿಚಾರ ಮಾಡಿದ ವನಾಗಿದ್ದಾನೆ ೧೨ ಮತ್ತು ಹೆಂಡತಿಯು ತನ್ನ ಗಂಡನನ್ನು ಬಿಟ್ಟು
ಮತ್ತೊಬ್ಬನನ್ನು ಮದುವೆ ಮಾಡಿಕೊಂಡರೆ ಅವಳು ವ್ಯಬಿಚಾರ ಮಾಡಿದ್ದವಳಾಗಿದ್ದಾಳೆ ಎಂದು
ಹೇಳಿದನು.

### ಯೇಸು ಚಿಕ್ಕ ಮಕ್ಕಳನ್ನು ಆಶೀರ್ವದಿಸಿದ್ದು.

(ಮತ್ತಾ ೧೯ ೧೩-೧೫ ಲೂಕ ೧೮. ೧೫-೧೭)

೧೩ ಬಳಿಕ ಕೆಲವರು ತಮ್ಮ ಚಿಕ್ಕ ಮಕ್ಕಳನ್ನು ಯೇಸುವಿನಿಂದ ಮುಟ್ಟಿಸಬೇಕೆಂದು ಆತನ ಬಳಿಗೆ
ತರಲು ಶಿಷ್ಯರು ಅವರನ್ನು ಗದರಿಸಿದರು. ೧೪ ಆದರೆ ಯೇಸು ಅದನ್ನು ಕಂಡು ಕೋಪಗೊಂಡು
ಅವರಿಗೆ – ಚಿಕ್ಕಮಕ್ಕಳನ್ನು ಣ್ನ ಹತ್ತಿರಕ್ಕೆ ಬರಗೊಡಿಸಿರಿಅವುಗಳಿಗೆ ಅಡ್ಡಿಮಾಡಬೇಡಿರಿ.
ದೇವರ ರಾಜ್ಯವು ಇಂಥವರದೇ. ೧೫ ನಿಮಗೆ ಸತ್ಯವಾಗಿ ಹೇಳುತ್ತೇನೆ ಯಾವನು ಶಿಶುಭಾವದಿಂದ
ದೇವರ ರಾಜ್ಯವನ್ನು ಅಂಗೀಕರಿಸುವದಿಲ್ಲವೋ ಅವನು ಅದರಲ್ಲಿ ಸೇರುವದೇ ಇಲ್ಲ ಎಂದು ಹೇಳಿ,
೧೬ ಅವುಗಳನ್ನು ಅಪ್ಪಿಕೊಂಡು ಅವುಗಳ ಮೇಲೆ ಕೈಯಿಟ್ಟು ಆಶೀರ್ವದಿಸಿದನು.

### ಯೇಸು ಹಣದ ಭ್ರಮೆಯಿಂದಾಗುವ ಕೇಡನ್ನು ತೋರಿಸಿದ್ದು.

(ಮತ್ತಾಯ ೧೯ .೧೬-೩೦. ಲೂಕ ೧೮ . ೧೮-೩೦ )

೧೭ ಆತನು ಹೊರಟು ದಾರಿ ಹಿಡಿದು ಹೋಗುವಾಗ ಒಬ್ಬರು ಓಡುತ್ತಾ ಆತನ ಎದುರಗೆ ಬಂದು
ಮೊಣಕಾಲೂರಿ – ಒಳ್ಳೇ ಬೋಧಕನೇ ನಾನು ನಿತ್ಯಜೀವಕ್ಕೆ ಬಾಧ್ಯಸ್ಥನಾಗಬೇಕೆದರೆ ಏನು
ಮಾಡಬೇಕೆಂದು ಆತನನ್ನು ಕೇಳಲಾಗಿ ೧೮ ಯೇಸು ಅವನಿಗೆ ನನ್ನನ್ನು ಒಳ್ಳೆಯವನೆಂದು ಯಾಕೆ
ಹೇಳುತ್ತೀ ದೆವರೊಬ್ಬನೇ ಹೊರತು ಮತ್ತಾವನೂ ಒಳ್ಳೆಯವನಲ್ಲ. ೧೯ ನರಹತ್ಯಮಾಡಬಾರದು,
ವ್ಯಬಿಚಾರ ಮಾಡಬಾರದು, ಕದಿಯಬಾರದು ಸುಳ್ಳುಸಾಕ್ಷಿ ಹೇಳಬಾರದು. ಮೋಸಮಾಡಬಾರದು
ನಿನ್ನ ತಂದೆತಾಯುಗಳನ್ನು ಸನ್ಮಾನಿಸಬೇಕು ಎಂಬ ದೇವರಾಜ್ಞೆಗಳಯ ನಿನಗೆ ಗೊತ್ತಿವೆಯಷ್ಟೆ
ಎಂದು ಹೇಳಿದನು. ೨೦ ಅವನು ಆತನಿಗೆ ಬೋಧಕನೆ ನಾನು ಚಿಕ್ಕಂದಿನಿಂದಲೂ ಇವೆಲ್ಲಕ್ಕೂ
ಸರಿಯಾಗಿ ನಡಕೊಂಡು ಬಂದಿದ್ದೆನೆ ಎಂದು ಹೇಳಲು ೨೧ ಯೇಸು ಅವಣ್ನು ದೃಷ್ಟಿಸಿ ನೋಡಿ
ಪ್ರೀತಿಸಿ ಅವನಿಗೆ – ನಿನಗೆ ಒಂದು ಕಡಿಮೆಯಾಗಿದೆ . ಹೋಗು ನಿನ್ನ ಬದುಕನ್ನೆಲ್ಲಾ
ಮಾರಿ ಬಡವರಿಗೆ ಕೊಡುಪರಲೋಕದಲ್ಲಿ ನಿನಗೆ ಸಂಪತ್ತಿರುವದು ನೀನು ಬಂದು ನನ್ನನ್ನು
ಹಿಂಬಾಲಿಸು ಎಂದು ಹೇಳಿದನು. ೨೨ ಆದರೆ ಅವನು ಬಹಳ ಆಸ್ತಿಯುಳ್ಳವನಾಗಿದ್ದದರಿಂದ ಈ
ಮಾತಿಗೆ ಮೋರೆ ಬಾಡಿದವನಾಗಿ ದುಃಖದಿಂದ ಹೊರಟುಹೋದನು. ೨೩ ಆಗ ಯೇಸು ಸುತ್ತಲೂ

ನೋಡಿ ತನ್ನ ಶಿಷ್ಯರಿಗೆ ಧನವಂತರು ದೇವರ ರಾಜ್ಯದಲ್ಲಿ ಸೇರುವದು ಎಷ್ಟೋ ಕಷ್ಟ ಎಂದು
ಹೇಳಿದನು. ೨೪ ಶಿಷ್ಯರು ಆತನ ಮಾತುಗಳನ್ನು ಕೇಳಿ ಬೆರಗಾದರು. ಯೇಸು ತಿರಿಗಿ ಅವರಿಗೆ –
ಮಕ್ಕಳಿರಾ ದೇವರ ರಾಜ್ಯದಲ್ಲಿ ಸೇರುವದು ಎಷ್ಟೋ ಕಷ್ಟ. ೨೫ ಐಶ್ವರ್ಯವಂತನು ದೆವರ ರಾಜ್ಯದಲ್ಲಿ
ಸೇರುವದಕ್ಕಿಂತ ಸೂಜೀಕಣ್ಣಿನಲ್ಲಿ ನುಗ್ಗಿಹೋಗುವದು ಸುಲಭ ಎಂದು ಹೇಳಿದನು. ೨೬ ಈ
ಮಾತಿಗೆ ಅವರು ಇನ್ನಷ್ಟಾಶ್ಚರ್ಯಪಟ್ಟು – ಹೀಗಿದಚದರೆ ಯಾರಿಗೆ ರಕ್ಷಣೆಯಾದೀತು ಎಂದು
ತಮ್ಮ ತಮ್ಮೊಳಗೆ ಹೇಳಿಕೊಳ್ಳಲು ೨೭ ಯೇಸು ಅವರನ್ನು ದೃಷ್ಟಿಸಿ ನೋಡಿ, ಇದು ಮನುಷ್ಯರಿಗೆ
ಅಸಾಧ್ಯ. ದೇವರಿಗೆ ಅಸಾಧ್ಯವಲ್ಲ.ದೇವರಿಗೆ ಎಲ್ಲವೂ ಸಾಧ್ಯವೆ ಅಂದನು. ೨೮ ಪೇತ್ರನು
ಆತನಿಗೆ ಇಗೋ ನಾವು ಎಲ್ಲಾ ಬಿಟ್ಟು ಬಿಟ್ಟು ನಿನ್ನನ್ನು ಹಿಂಬಾಲಿಸಿದ್ದೇವೆಎಂದು ಹೇಳುವದಕ್ಕೆ
ಪ್ರಾರಂಬಿಸಲು ೨೯ ಯೇಸು ನಿಮಗೆ ಸತ್ಯವಾಗಿ ಹೇಳುತ್ತೇನೆ, ಯಾವನು ನನ್ನ ನಿಮಿತ್ತವೂ
ಸುವಾರ್ತೆ ನಿಮಿತ್ತವೂ ಮನೆಯನ್ನಾಗಲಿ, ಅಣ್ಣತಮ್ಮಂದಿರನ್ನಾಗಲಿ, ಅಕ್ಕತಂಗಿಯರನ್ನಾಗಲಿ,
ತಾಯಿಯನ್ನಾಗಲಿ, ತಂದೆಯನ್ನಾಗಲಿ, ಮಕ್ಕಳನ್ನಾಗಲಿ, ಭೂಮಿಯನ್ನಾಗಲಿಬಿಟ್ಟು
ಬಿಟ್ಟಿರುವನೋ ೩೦ ಅವನಿಗೆ ಈಗಿನ ಕಾಲದಲ್ಲಿ ಮನೆ, ಅಣ್ಣ, ತಮ್ಮ ,ಅಕ್ಕ, ತಂಗಿ,ತಾಯಿ ,
ಮಕ್ಕಳು ಭೂಮಿ ಇವೆಲ್ಲವೂ ಹಿಂಸೆಗಳ ಸಹಿತವಾಗಿ ನೂರರಷ್ಟು ಸಿಕ್ಕೇ ಸಿಕ್ಕುತ್ತವೆ. ಮತ್ತು
ಮೊಂದಣ ಲೋಕದಲ್ಲಿ ನಿತ್ಯಜೀವವು ದೊರೆಯುವದು. ೩೧ ಆದರೆ ಬಹು ಮಂದಿ ಮೊಲಿನವರು
ಕಡೆಯವರಾಗುವರು. ಕಡೆಯವರು ಮೊದಲಿನವರಾಗುವರು ಎಂದು ಹೇಳಿದನು.

### ಯೇಸು ತನ್ನ ಮರಣ ಪುನರುತ್ಥಾನವನ್ನು ಮೂರನೆಯ ಸಾರಿ ಮುಂದಾಗಿ ತಿಳಿಸಿದ್ದು.

(ಮತ್ತಾ ೨೦ ೧೭-೧೯; ಲೂಕ ೧೮. ೩೧- ೩೪)

೩೨ ಅವರು ಯೆರೂಸಲೇಮಿನ ದಾರಿಯನ್ನು ಹಿಡಿದು ಹೋಗುತ್ತಿರುವಾಗ ಯೇಸು
ಅವರ ಮುಂದೆ ಮೂಂದೆ ಹೋಗುತ್ತಿದ್ದನು. ಅವರು ನೋಡಿ ಬೆರಗಾದರು. ಆತನ ಹಿಂದೆ
ಬರುವವರು ಭಯಪಡುವವರಾದರು. ಆಗ ಆತನು ತನ್ನ ಹನ್ನೆರಡು ಮಂದಿ ಶಿಷ್ಯರನ್ನು ತಿರಿಗಿ
ಕರಕೊಂಡು ಮುಂದೆ ತನಗಾಗುವದನ್ನು ಹೇಳುವದಕ್ಕೆ ತೊಡಗಿ- ೩೩ ಅವರಿಗೆ ನೋಡಿರಿ, ನಾವು
ಯೆರೂಸಲೇಮಿಗೆ ಹೋಗುತ್ತಾ ಇದ್ದೇವೆ ಮತ್ತು ಮನುಷ್ಯಕುಮಾರನನ್ನು ಮಹಾಯಾಜಕರ
ಮತ್ತು ಶಾಸ್ತ್ರಿಗಳ ಕೈಗೆ ಹಿಡುಕೊಡುವರು. ಅವರು ಅವನಿಗೆ ಮರಣದಂಡನೆಯನ್ನು ವಿಧಿಸಿ
ಅವನನ್ನು ಅನ್ಯರ ಕೈಗೆ ಒಪ್ಪಿಸುವರು. ೩೪ ಇವರು ಅವನನ್ನು ಅಪಹಾಸ್ಯ ಮಾಡುವರು. ಅವನ ಮೇಲೆ
ಉಗುಳುವರು. ಅವನನ್ನು ಕೊರಡೆಗಳಿಂದ ಹೊಡೆಯುವರು. ಕೊಂದು ಹಾಕುವರು. ಅವನು ಮೂರು
ದಿನದ ಮೇಲೆ ಜೀವಿತನಾಗಿ ಎದ್ದು ಬರುವನು ಎಂದು ಹೇಳಿದನು.

### ಯೇಸು ತನ್ನ ಶಿಷ್ಯರಿಗೆ ದೀವಭಾವವಿರಬೇಕೆಂದು ಬೋಧಿಸಿದ್ದು.

(ಮತ್ತಾ ೨೦ . ೨೦-೨೮)

೩೫ ಆಗ ಜೆಬೆದಾಯನ ಮಕ್ಕಳಾದ ಯಾಕೋಬ ಯೋಹಾನರುಆತನ ಬಳಿಗೆ ಬಂದು ಆತನಿಗೆ –
ಗುರುವೇ,ನಾವಯ ಒಂದನ್ನು ಕೇಳಿಕೊಳ್ಳುತ್ತೇವೆ ಅದನ್ನು ನಮಗೋಸ್ಕರ ನಡಿಸಿಕೊಡಬೇಕೆಂದು
ಹೇಳಿದರು. ೩೬ ಆತನು ಅವರಿಗೆ ನಿಮಗೇನು ನಡಿಸಿಕೊಡಬೇಕುಎಂದು ಕೇಳಲು ೩೭ ಅವರು
– ನಿನಗೆ ಮಹಾ ಪದವಿ ಬಂದಾಗ ನಮ್ಮಲ್ಲಿ ಒಬ್ಬನು ನಿನ್ನ ಬಲಗಡೆಯಲ್ಲೂ ಮತ್ತೊಬ್ಬನು
ಎಡಗಡೆಯಲ್ಲೂ ಕೂತುಕೊಳ್ಳುವಂತೆ ನಮಗೆ ಅನುಗ್ರಹಮಾಡಬೇಕು ಅಂದರು. ೩೮ ಆದರೆ
ಯೇಸು ಅವರನ್ನು ನೀವು ಬೇಡಿಕೊಂಡದ್ದು ಏನೆಂದು ನಿಮಗೆ ತಿಳಿಯದು. ನಾನು ಕುಡಿಯುವ
ಪಾತ್ರೆಯಲ್ಲಿ ಕುಡಿಯುವದು ನಿಮ್ಮಿಂದಾದೀತೆ?ನನಗಾಗುವ ದೀಕ್ಷಾಸ್ನಾನವನ್ನು ಹೊಂದುವದು
ನಿಮ್ಮಿಂದಾದೀತೆ ಎಂದು ಕೇಳಲು ಅವರು ಆಗುವದು ಅಂದರು. ೩೯ ಆಗ ಯೇಸು ಅವರಿಗೆ ನಾನು
ಕುಡಿಯುವ ಪಾತ್ರೆಯಲ್ಲಿ ಕುಡಿಯುವಿರಿ. ನನಗಾಗುವ ಸ್ನಾನವು ನಿಮಗಾಗುವದು ೪೦ ಆದರೆ ನನ್ನ
ಬಲಗಡೆಯಲ್ಲಾದರೂ ಎಡಗಡೆಯಲ್ಲಾದರೂ ಕೂತುಕೊಳ್ಳುವಂತೆ ಅನುಗ್ರಹಮಾಡುವದು ನನ್ನದಲ್ಲದು
ಯಾರಿಗೆಂದು ಸಿದ್ದಪಡಿಸಿದೆಯೋ ಅವರಗೇ ಸಿಕ್ಕುವದು ಎಂದು ಹೇಳದನು. ೪೧ ಉಳಿದ ಹತ್ತು
ಮಂದಿ ಶಿಷ್ಯರು ಇದನ್ನು ಕೇಳಿ ಯಾಕೋಬ ಯೋಹಾನರ ಮೇಲೆ ಸಿಟ್ಟಿಗೆದ್ದರು. ೪೨ ಯೇಸು
ಅವರನ್ನು ಹತ್ತಿರಕ್ಕೆ ಕರೆದು ಅವರಿಗೆ ಜನಗಳನ್ನಾಳುವವರೆನ್ನಿಸಿಕೊಳ್ಳುವವರು ಅವರ ಮೇಲೆ
ಅಹಂಕಾರದಿಂದ ದೊರೆತನ ಮಾಡುತ್ತಾರೆ. ಮತ್ತು ಅವರಲ್ಲಿ ದೊಡ್ಡವರು ಬಲಾತ್ಕಾರದಿಂದ
ಅಧಿಕಾರ ನಡೆಸುತ್ತಾರೆ. ಎಂದು ನೀವು ಬಲ್ಲಿರಷ್ಟೆ. ೪೩ ಆದರೆ ನಿಮ್ಮಲ್ಲಿ ಹಾಗಿರಬಾರದು.
ನಿಮ್ಮಲ್ಲಿ ದೊಡ್ಡವನಾಗಬೇಕೆಂದಿರುವವನು ನಿಮ್ಮ ಸೇವಕನಾಗಿರಬೇಕು. ೪೪ ನಿಮ್ಮಲ್ಲಿ

ಮೊದಲನೆಯವನಾಗಬೇಕೆಂದಿರುವವನು ಎಲ್ಲರ ಆಳಾಗಿರಬೇಕು. ೪೫ ಮನುಷ್ಯಕುಮಾರನು
ಸಹ ಸೇವೆಮಾಡಿಸಿಕೊಳ್ಳುವದಕ್ಕೆ ಬರಲಿಲ್ಲ. ಸೇವೆಮಾಡುವದಕ್ಕೂ ಅನೇಕರನ್ನು
ಬಿಡಿಸಿಕೊಳ್ಳುವದಕ್ಕಾಗಿ ತನ್ನ ಪ್ರಾಣವನ್ನು ಈಡುಕೊಡುವದಕ್ಕೂ ಬಂದನು. ಎಂದು ಹೇಳಿದನು.

### ಯೇಸು ಭಾರ್ತಿಮಾಯನೆಂಬ ಒಬ್ಬ ಕುರುಡನಿಗೆ ದೃಷ್ಟಿ ಕೊಟ್ಟದ್ದು.

(ಮತ್ತಾ ೨೦ . ೨೯-೩೪; ಲೂಕ ೧೮. ೩೫- ೪೩)

೪೬ ಆ ಮೇಲೆ ಅವರು ಯೆರಿಕೋವಿಗೆ ಬಂದರು. ಆತನೂ ಆತನ ಶಿಷ್ಯರೂ ಬಹು ಜನರ
ಗುಂಪೂ ಆ ಊರಿನಿಂದ ಹೊರಟುಹೋಗುತ್ತಿರುವಾಗ ತಿಮಾಯನ ಮಗನಾದ ಬಾರ್ತಿಮಾಯನು
ದಾರಿಯ ಮಗ್ಗುಲ್ಲಿ ಕೂತಿದ್ದನು. ೪೭ ಅವನು ಕುರುಡ ಬಿಕ್ಷಗಾರನು. ಈ ಮಾರ್ಗವಾಗಿ ಹೋಗುವವನು
ನಜರೇತಿನ ಯೇಸುವೆಂದು ಅವನು ಕೇಳಿ- ದಾವೀದನ ಕುಮಾರನೇ ಯೇಸುವೇ ನನ್ನನ್ನು
ಕರುಣಿಸು ಎಂದು ಕೂಗಿಕೊಳ್ಳುವದಕ್ಕೆ ಪ್ರಾರಂಬಿಸಿದನು. ೪೮ ಅನೇಕರು – ಸುಮ್ಮನಿರು ಎಂದು
ಗಧರಿಸಲು ಅವನು – ದಾವೀದನ ಕುಮಾರನೇ ನನ್ನನ್ನು ಕರುಣಿಸು ಎಂದು ಮತ್ತಷ್ಟು ಕೂಗಿಕೊಂಡನು
೪೯ ಆಗ ಯೇಸು ನಿಂತು – ಅವನನ್ನು ಕರೆಯಿರಿ ಅನ್ನಲು ಅವರು ಆ ಕುರುಡನನ್ನು ಕರೆದು
– ಧೈರ್ಯವಿರಲಿ ಏಳು ನಿನ್ನನ್ನುಕರೆಯುತ್ತಾನೆ ಅಂದರು. ೫೦ ಅವನು ತನ್ನ ಹೊದಿಕೆಯನ್ನು
ತೆಗೆದುಹಾಕಿ ತಟ್ಟನೆ ಎದ್ದು ಯೇಸುವಿನ ಬಳಿಗೆ ಬಂದನು. ೫೧ ಯೇಸು ಅವನನ್ನು – ನಾನು
ನಿನಗೆ ಏನು ಮಾಡಬೇಕೆಂದು ಕೋರುತ್ತಿ ಎಂದು ಕೇಳಲು ಆ ಕುರುಡನು- ನನಗೆ ಕಣ್ಣುಬರುವಂತೆ
ಮಾಡಬೇಕು ಗುರುವೇ ಅಂದನು. ೫೨ ಯೇಸು ಅವನಿಗೆ – ಹೋಗು ನಿನ್ನ ನಂಬಿಕೆಯೇ ನಿನ್ನನ್ನು
ಸ್ವಸ್ಥ ಮಾಡಿ ಅದೆ ಎಂದು ಹೇಳಿದನು. ಕೂಡಲೇ ಅವನಿಗೆ ಕಣ್ಣು ಬಂದವು. ಅವನು ಆ ದಾರಿಯಲ್ಲಿ
ಆತನ ಹಿಂದೆ ಹೋದನು.

### ಯೇಸು ಅರಸನಂತೆ ಯೆರೂಸಲೇಮಿನಲ್ಲಿ ಪ್ರವೇಶಿಸಿದ್ದು.

(ಮತ್ತಾ ೨೧. ೧-೯; ಲೂಕ ೧೯. ೨೯-೩೮; ಯೋಹಾ. ೧೨. ೧೨-೧೬.)

೧೧ ೧ ಅವರು ಅವನು ಯೆರೂಸಲೇಮಿಗೆ ಸಮೀಪಿಸಿ ಎಣ್ಣೆಯ ಮರಗಳ ಗುಡ್ಡದ ಬಳಿ
ಯಲ್ಲಿರುವ ಬೇತ್ಪಗೆಗೆ ಬೇಥಾನ್ಯಕ್ಕು ಬಂದಾಗ, ಆತನು ತನ್ನ ಇಬ್ಬರನ್ನು ಶಿಷ್ಯರನ್ನು ಕರೆದು
೨ ನಿಮ್ಮೆದುರಿಗಿರುವ ಹಳ್ಳಿಗೆ ಹೋಗಿರಿ. ಅದರೊಳಗೆ ಸೇರುತ್ತಿರುವಾಗಳಲೆ ಅಲ್ಲಿ ಕಟ್ಟಿರುವ
ಕತ್ತೆ ಮರಿಯನ್ನೂ ಕಾಣುವಿರಿ.ಇದುವರೆಗೆ ಅದರ ಮೇಲೆ ಯಾರೂ ಹತ್ತಿಲ್ಲ. ಅದನ್ನು ಬಿಚ್ಚಿ
ಹಿಡುಕೊಂಡು ಬನ್ನಿರಿ. ೩ ಯಾವನಾದರೂ ನಿಮ್ಮನ್ನು ಏನು ಹೀಗೆ ಮಾಡುವದು ಎಂದು ಕೇಳಿದರೆ
ಇದು ಸ್ವಾಮಿಯವರಿಗೆ ಬೇಕಾಗಿದೆ. ಅವರು ತಡಮಾಡದೆ ತಿರಿಗಿ ಇಲ್ಲಹೆ ಕಳುಹಿಸಿಕೊಡುವರು
ಅನ್ನಿರಿ ಎಂದು ಹೇಳಿ ಕಳುಹಿಸಿದನು. ೪ ಆಗ ಶಿಷ್ಯರು ಹೋಗಿಬೀದಿಯಲ್ಲಿ ಹೊರಗೆ ಬಗಲಿನ
ಹತ್ತಿರ ಒಂದು ಕತ್ತೆ ಮರಿ ಕಟ್ಟಿರುವದನ್ನು ಕಂಡು ತದನ್ನು ಬಿಚ್ಚಿದರು. ೫ ಅಲ್ಲಿ ನಿಂತಿದ್ದವರು
ಕೆಲವರು- ಈ ಮರಿಯನ್ನು ಬಿಚ್ಚಿ ಏನು ಮಡುತ್ತಿರಿ? ಎಂದು ಅವರನ್ನು ಕೇಳಿದ್ದಕ್ಕೆ ೬ ಯೇಸು
ಹೇಳಿದಂತಯೆ ಅವರು ಹೇಳಿದಾಗ ಆ ಜನರು ತೆಗೆದುಕೊಂಡು ಹೋಗಹೊಡಿಸಿದರು.
೭ ಶಿಷ್ಯರು ಆ ಮರಿಯನ್ನು ಯೇಸುವಿನ ಬಳಿಗೆ ತಂದು ತಮ್ಮ ಬಟ್ಟೆಗಳನ್ನುಅದರ ಮೇಲೆ ಹಾಕಲು
ಆತನು ಹತ್ತಿ ಕೂತುಕೊಂಡನು. ೮ ಆಗ ಅನೇಕರು ತಮ್ಮ ಬಟ್ಟೆಗಳನ್ನು ದಾರಿಯಲ್ಲಿ ಹಾಸಿದರು. ಬೇರೆ
ಕೆಲವರು ತೋಟಗಳಿಂದ ಚಿಗುರುಗಳನ್ನು ಕೊಯಿದು ತಂದು ಹಾಸಿದರು. ೯ ಆತನ ಹಿಂದೆಯೂ
ಮುಂದೆಯೂ ಹೋಗುತ್ತಿದ್ದವರು ಜಯ ಕರ್ತನ ಹೆಸರಿನಲ್ಲಿ ಬರುವವನಿಗೆ ಆಶೀರ್ವಾದ. ೧೦ ನಮ್ಮ
ಪಿತೃವಾದ ದಾವೀದನ ರಾಜ್ಯವು ಬರುತ್ತದೆ ತದಕ್ಕೆ ಆಶೀರ್ವಾದ ಮೇಲಣ ಲೋಕಗಳಲ್ಲಿ ಜಯ
ಎಂದು ಆರ್ಭಟಿಸಿದರು.
೧೧ ತರುವಾಯ ಯೇಸು ಯೆರೂಸಲೇಮನ್ನು ಸೇರಿ ದೇವಾಲಯಕ್ಕೆ ಹೋಗಿ ಸುತ್ತಲೂ ಎಲ್ಲಾ
ನೋಡಿಕೊಂಡು ಅಷ್ಟರಲ್ಲಿ ಸಂಜೆಯಾದದ್ದರಿಂದ ಹನ್ನೆರಡು ಮಂದಿ ಶಿಷ್ಯರನ್ನು ಕರಕೊಂಡು
ಬೇಥಾನ್ಯಕ್ಕೆ ಹೊರಟುಹೋದನು.

### ಯೇಸುವಿನ ಮಾತಿಗೆ ಅಂಜೂರದ ಮರವು ಒಣಗಿಹೋದದ್ದು. ದೇವಾಲಯದಲ್ಲಿ ವ್ಯಾಪಾರ ಮಾಡುವವರನ್ನು ಹೊರಡಿಸಿದ್ದು.

(ಮತ್ತಾ ೨೧.೧೨-೨೨; ಲೂಕ ೧೯. ೪೫-೪೮.)

೧೨ ಮರುದಿನ ಅವರು ಬೇಥಾನ್ಯವನ್ನು ಬಿಟ್ಟು ಬರುತ್ತಿರುವಾಗ ಆತನು ಹಸಿದನು. ೧೩ ಮತ್ತು
ಎಲೆ ಬಿಟ್ಟಿದ್ದ ಒಂದು ಅಂಜೂರದ ಮರವನ್ನು ದೂರದಲ್ಲಿ ಕಂಡು ಅದರಲ್ಲಿ ತನಗೇನಾದರೂ ಹಣ್ಣು
ಸಕ್ಕೀತೆಂದು ಅಲ್ಲಿಗೆ ಹೋದನು. ಅದರ ಹತ್ತಿರಕ್ಕೆ ಬಂದಾಗ ಅದರಲ್ಲಿ ಎಲೆಗಳನ್ನೇ ಹೊರತು
ಮತ್ತೇನೂ ಕಾಣಲಿಲ್ಲ. ಅದು ಅಂಜೂರದ ಹಣ್ಣಿನ ಕಾಲಚಲ್ಲ. ೧೪ ಆಗ ಯೇಸು ಆ ಮರಕ್ಕೆ – ಇನ್ನು
ಮೇಲೆ ಒಬ್ಬರೂ ನಿನ್ನಲ್ಲಿ ಹಣ್ಣನ್ನು ಎಂದೆಂದಿಗೂ ತಿನ್ನದ ಹಾಗಾಗಲಿ. ಎಂದು ಹೇಳಿದನು. ಆತನ
ಶಿಷ್ಯರು ಅದನ್ನು ಕೇಳಿದರು.
೧೫ ಅವರು ಯೆರೂಸಲೇಮಿಗೆ ಬಂದಾಗ ಯೇಸು ದೇವಾಲಯಕ್ಕೆ ಹೋಗಿ ಅದರಲ್ಲಿ
ಮಾರುವವರನ್ನೂ ಕೊಳ್ಳುವವರನ್ನೂ ಹೊರಡಿಸಿಬಿಡುವದಕ್ಕೆ ಪ್ರಾರಂಬಿಸಿ ಚಿನಿವಾರರ
ಮೇಜುಗಳನ್ನು ಪಾರಿವಾಳ ಮಾರುವವರ ಕಾಲ್ಮಣೆಗಳನ್ನೂ ಕೆಡವಿದನು ೧೬ ಒಬ್ಬನನ್ನಾದರೂ
ಸಾಮಾನು ಹೊತ್ತುಕೊಂಡು ದೇವಾಲಯದೊಳಕ್ಕೆ ಹಾದು ಹೋಗಗೊಡಿಸಲಿಲ್ಲ. ೧೭ ಮತ್ತು ಆತನು
ಉಪದೇಶಮಾಡಿ ನನ್ನ ಆಲಯವು ಎಲ್ಲಾ ಜನಾಂಗಗಳಿಗೂ ಪ್ರಾರ್ಥನಾಲಯವೆನಿಸಿಕೊಳ್ಳುವದು
ಎಂದು ಬರೆದಿದೆಯಲ್ಲಾ? ಆದರೆ ನೀವು ಅದನ್ನು ಕಳ್ಳರ ಗವಿ ಮಾಡಿದ್ದೀರಿ. ೧೮ ಅದನ್ನು
ಮಹಾಯಾಜಕರೂ ಶಾಸ್ತ್ರಿಗಳೂ ಕೇಳಿ ಅವನನ್ನು ಯಾವ ಉಪಾಯದಿಂದ ಕೊಲಲ್ಲೋಣ
ಎಂದು ಸಂದರ್ಭ ನೋಡುತ್ತಿದ್ದರು. ಯಾಕಂದರೆ ಜನರೆಲ್ಲಾ ಆತನ ಉಪದೇಶ ಕೇಳಿ
ಅತ್ಯಾಶ್ಚರ್ಯಪಟ್ಟದ್ದರಿಂದ ಅವರು ಆತನಿಗೆ ಹೆದರುತ್ತಿದ್ದರು.
೧೯ ಪ್ರತಿ ಸಾಯಂಕಾಲ ಯೇಸುವೂ ಆತನ ಶಿಷ್ಯರೂ ಪಟ್ಟಣವನ್ನು ಬಿಟ್ಟು ಹೊರಗೆ
ಹೋಗುತ್ತಿದ್ದರು. ೨೦ ಬೆಳಿಗ್ಗೆ ಅವರು ಬರುತ್ತಿರುವಾಗ ಆ ಅಂಜೂರದ ಮರವು ಬುಡದಿಂದಲೂ
ಒಣಗಿಹೋಗಿರುವದನ್ನು ಕಂಡರು. ೨೧ ಆಗ ಪೇತ್ರನು ಹಿಂದಿನ ದಿನದ ಸಂಗತಿಯನ್ನು
ನೆನಸಿಕೊಂಡು ಆತನಿಗೆ – ಗುರುವೇ ಇಗೋ ನೀನು ಶಾಪ ಕೊಟ್ಟ ಅಂಜೂರದ ಮರವು
ಒಣಗಿಹೋಗಿದೆ ಎಂದು ಹೇಳಿದ್ದಕ್ಕೆ ೨೨ ಯೇಸು ಹೇಳಿದ್ದೇನಂದರೆ ನಿಮಗೆ ದೇವರಲ್ಲಿ
ನಂಬಿಕೆಯಿರಲಿ. ೨೩ ನಿಮಗೆ ಸತ್ಯವಾಗಿ ಹೇಳುತ್ತೇನೆ. ಯಾವನಾದರೂ ಈ ಬೆಟ್ಟಕ್ಕೆ ನೀನು
ಕಿತ್ತುಕೊಂಡು ಹೋಗಿ ಸಮುದ್ರದಲ್ಲಿ ಬೀಳು ಎಂದು ಹೇಳಿ ತನ್ನ ಮನಸ್ಸಿನಲ್ಲಿ ಸಂಶಯಪಡದೆ
ತಾನು ಹೇಳಿದ್ದು ಆಗುವದೆಂದು ನಂಬಿದರೆ ಅವನು ಹೇಳಿದಂತೆಯೇ ಆಗುವದು. ೨೪ ಆದಕಾರಣ
ನೀವು ಪ್ರಾರ್ಥನೆ ಮಾಡಿ ಏನೇನು ಬೇಡಿಕೊಳ್ಳುತ್ತೀರೋ ಅದನ್ನೆಲ್ಲಾ ಹೊಂದಿದ್ದೇವೆಂದು
ನಂಬಿರಿ. ಅದು ನಿಮಗೆ ಸಿಕ್ಕುವದೆಂದು ನಿಮಗೆ ಹೇಳುತ್ತೇನೆ. ೨೫ ಇದಲ್ಲದೆ ನೀವು
ನಿಂತುಕೊಂಡು ಪ್ರಾರ್ಥನೆಮಾಡುವಾಗೆಲ್ಲಾ ಯಾರ ಮೇಲೆ ಏನಾದರೂ ವಿರೋಧವಿದ್ದರೆ ಅದನ್ನು
ಅವನಿಗೆ ಕ್ಷಮಿಸಿರಿ ೨೬ ಕ್ಷಮಿಸಿದರೆ ಪರಲೋಕದಲ್ಲಿರುವ ನಿಮ್ಮ ತಂದೆಯು ಸಹ ನಿಮ್ಮ
ತಪ್ಪುಗಳನ್ನು ನಿಮಗೆ ಕ್ಷಮಿಸಿ ಬಿಡುವನು ಅಂದನು.

### ಶಾಸ್ತ್ರಿಗಳು ಯೇಸುವಿನ ಅಧಿಕಾರವನ್ನು ವಿಚಾರಿಸಿದಾಗ ಆತನು ತಕ್ಕ ಉತ್ತರಕೊಟ್ಟು ಅವರು ಮಾಡಿದ ದೈವದಸರೋಹವನ್ನು ಸಾಮ್ಯದಿಂದ ಸೂಚಿಸಿದ್ದು.

(ಮತ್ತಾ ೨೧. ೨೩- ೪೬; ಲೂಕ ೨೦. ೧-೧೯)

೨೭ ಅವರು ತಿರಿಗಿ ಯೆರೂಸಲೇಮಿಗೆ ಬಂದಾಗ ಆತನು ದೇವಾಲಯದಲ್ಲಿ
ತಿರುಗಾಡುತ್ತಿರಲಾಗಿ ಮಹಾಯಾಜಕರೂ ಶಾಸ್ತ್ರಿಗಳೂ ಹಿರಿಯರೂ ಆತನ ಬಳಿಗೆ ಬಂದು
೨೮ ನೀನು ಯಾವ ಅಧಿಕಾರದಿಂದ ಇದನ್ನೆಲ್ಲಾ ಮಾಡುತ್ತೀ? ಇದನ್ನು ಮಾಡುವದಕ್ಕೆ ಅಧಿಕಾರವನ್ನು
ನಿನಗೆ ಯಾರು ಕೊಟ್ಟರು. ಎಂದು ಆತನನ್ನು ಕೇಳಿದರು. ೨೯ ಯೇಸು ಅವರಿಗೆ ನಾನು ನಿಮ್ಮನ್ನು
ಒಂದು ಮಾತು ಕೇಳುತ್ತೇನೆ. ನನಗೆ ಉತ್ತರ ಹೇಳಿದರೆ ನಾನೂ ಸಹ ಯಾವ ಅಧಿಕಾರದಿಂದ
ಇದನ್ನು ಮಾಡುತ್ತೇನೆಂಬದನ್ನು ನಿಮಗೆ ಹೇಳುತ್ತೇನೆ. ೩೦ ದೀಕ್ಷಾಸ್ನಾನ ಮಾಡಿಸುವ ಅಧಿಕಾರವು
ಯೋಹಾನನಿಗೆ ಪರಲೋಕದಿಂದ ಬಂತೋ? ಮನುಷ್ಯರಿಂದ ಬಂತೋ? ಉತ್ತರ ಕೊಡಿರಿ
ಅಂದನು. ೩೧ ಆಗ ಅವರು – ಪರಲೋಕದಿಂದ ಬಂತೆಂದು ನಾವು ಹೇಳಿದರೆ ಹಾಗಾದರೆ
ನೀವು ಅವನನ್ನು ಯಾಕೆ ನಂಬಲಿಲ್ಲ. ಅಂದಾನು. ೩೨ ಮನುಷ್ಯರಿಂದ ಬಂತೆಂದು ಹೇಳಿದರೆ
ಏನಾಗುವದೋ ಎಂಬದಾಗಿ ತಮ್ಮತಮ್ಮೊಳಗೆ ಮಾತಾಡಿಕೊಳ್ಳುತ್ತಿದ್ದರು. ಯೋಹಾನನು

ಪ್ರವಾದಿಯೆಂದು ಜನರೆಲ್ಲರೂ ಅನುಮಾನವಿಲ್ಲದೆ ತಿಳುಕೊಂಡಿದ್ದರಿಂದ ಇವರಿಗೆ ಜನರ
ಭಯವಿತ್ತು. ೩೩ ಹೀಗಿರಲಾಗಿ ಅವರು – ನಾವರಿಯೆವು ಎಂದು ಉತ್ತರಕೊಟ್ಟರು. ಆಗ ಯೇಸು
ಅವರಿಗೆ ಯಾವ ಅಧಿಕಾರದಿಂದ ಇದನ್ನು

೧೨ ೧ ಆಗ ಯೇಸು ಅವನ ಕೂಡ ಸಾಮ್ಯರೂಪವಾಗಿ ಮಾತಾಡುವದಕ್ಕೆ ತೊಡಗಿ – ಒಬ್ಬ
ಮನುಷ್ಯನು ಒಂದು ದ್ರಾಕ್ಷೆಯ ತೋಟವನ್ನು ಮಾಡಿ ಸುತ್ತಲೂ ಬೇಲಿ ಹಾಕಿಸಿ ದ್ರಾಕ್ಷೆಯ
ಅಲೆಗಾಗಿ ಒಂದು ಗುಂಡಿಯನ್ನು ತೆಗಿಸಿ ಹೂಡೆಯನ್ನು ಕಟ್ಟಿಸಿ ಒಕ್ಕಲಿಗರಿಗೆ ವಾರಕ್ಕೆ ಕೊಟ್ಟು
ಬೇರೊಂದು ದೇಶಕ್ಕೆ ಹೋದನು. ೨ ಫಲಕಾಲ ಬಂದಾಗ ದ್ರಾಕ್ಷೆಯ ತೋಟದ ಹಣ್ಣಿನ ಪಾಲನ್ನು
ಆ ಒಕ್ಕಲಿಗರಿಂದ ತೆಗೆದುಕೊಂಡು ಬರುವದಕ್ಕಾಗಿ ಒಬ್ಬ ಆಲನ್ನು ಅವರ ಬಳಿಗೆ ಕಳುಹಿಸಿದನು.
೩ ಅವರು ಅವನನ್ನು ಹಿಡುಕೊಂಡು ಹೊಡೆದು ಬರಿಗೈಲಿ ಕಳುಹಿಸಿಬಿಟ್ಟರು. ೪ ಆ ದಣಿಯು
ತಿರಿಗಿ ಮತ್ತೊಬ್ಬ ಆಲನ್ನು ಅವರ ಬಳಿಗೆ ಕಳುಹಿಸಲು ಅವನನ್ನು ಅವರು ತಲೆತಲೆಯ ಮೇಲೆ
ಹೊಡೆದು ಅಪಮಾನ ಪಡಿಸಿದರು. ೫ ಆ ಮೇಲೆ ಇನ್ನೊಬ್ಬನನ್ನು ಕಳುಹಿಸಲು ಅವನನ್ನು ಕೊಂದು
ಹಾಕಿದರು. ಇನ್ನೂ ಸನೇಕರನ್ನು ಕಳುಹಿಸಿದನು. ಅವರಲ್ಲಿ ಕೆಲವರನ್ನು ಹೊಡೆದರು. ಕೆಲವರನ್ನು
ಕಡಿದುಹಾಕಿದರು. ೬ ಅವನಿಗೆ ಇನ್ನು ಒಬ್ಬನಿದ್ದನು. ಯಾರಂದರೆ ಅವನ ಮುದ್ದು ಮಗನೇ.ನನ್ನ
ಮಗನಿಗೆ ಮರ್ಯಾದೆ ತೋರಿಸಿಯಾರೆಂದು ದಣಿಯು ಕಡೆಯಲ್ಲಿ ಅವನನ್ನು ಅವರ ಬಳಿಗೆ
ಕಳುಹಿಸಿದನು. ೭ ಆದರೆ ಆ ಒಕ್ಕಲಿಗರು – ಇವನೇ ಬಾಧ್ಯಸ್ಥನು ಬನ್ನಿ ಇವನನ್ನು ಕೊಂದು ಹಾಕೋಣ.
ಅಗ ಸ್ವಾಸ್ಥ್ಯ ನಮ್ಮದಾಗುವದು ಎಂದು ಒಬ್ಬರಸಂಗಡಲೊಬ್ಬರು ಮಾತಾಡಿಕೊಂಡು ೮ ಅವನನ್ನು
ಹಿಡಿದು ಕೊಂದು ಹಾಕಿ ದ್ರಾಕ್ಷೆಯ ತೋಟದಿಂದಹೊರಕ್ಕೆ ಬಿಸಾಟುಬಿಟ್ಟರು. ೯ ಹಾಗಾದರೆ
ದ್ರಾಕ್ಷೆಯ ತೋಟದ ದಣಿಯು ಏನು ಮಾಡುವನು? ಅವನು ಬಂದು ಆ ಒಕ್ಕಲಿಗರನ್ನು ಸಂಹರಿಸಿ
ತನ್ನ ತೋಟವನ್ನು ಬೇರೆ ಜನರಿಗೆ ಮಾಡುವದಕ್ಕೆ ಕೊಡುವನು. ೧೦–೧೧ ಮನೆಕಟ್ಟುವವರು
ಬೇಡವೆಂದು ಬಿಟ್ಟ ಕಲ್ಲೇ ಮುಖ್ಯವಾದ ಮೂಲೆಗಲ್ಲಾಯಿತು ಇದು ಕರ್ತನಿಂದಲೇ ಆಯಿತು.
ನಮಗೆ ಆಶ್ಚರ್ಯವಾಗಿ ತೋರುತ್ತದೆ ಎಂಬುವ ಶಾಸ್ತ್ರವಚನವನ್ನು ನೀವು ಓದಲಿಲ್ಲವೇ ಅಂದನು.
೧೨ ಇವನು ತಮ್ಮನ್ನೇ ಕುರಿತು ಈ ಸಾಮ್ಯವನ್ನು ಹೇಳಿದನು. ಎಂದು ಅವರು ತಿಳುಕೊಂಡು
ಆತನನ್ನು ಹಿಡಿಯುವದಕ್ಕೆ ಸಂದರ್ಭನೋಡುತ್ತಿದ್ದರು. ಆದರೆ ಜನರಿಗೆ ಭಯಪಟ್ಟು ಆತನನ್ನು
ಬಿಟ್ಟುಹೋದರು.

### ಬೇರೆ ಬೇರೆ ಪಕ್ಷದವರು ಯೇಸುವನ್ನು ಮಾತಿನಲ್ಲಿ ಸಿಕ್ಕಿಸುವದಕ್ಕೆ ಪ್ರಯತ್ನಮಾಡಿ ಸೋತುಹೋದದ್ದು.

(ಮತ್ತಾ ೨೨. ೧೫- ೪೬; ಲೂಕ ೨೦. ೨೦-೪೪)

೧೩ ಆ ಮೇಲೆ ಅವರು ಆತನನ್ನು ಮಾತಿನಲ್ಲಿ ಹಿಡಿಯುವದಕ್ಕೆ ಫರಿಸಾಯರಲ್ಲಿಯೂ
ಹೆರೋದ್ಯರಲ್ಲಿಯೂ ಕೆಲವರನ್ನು ಆತನ ಬಳಿಗೆ ಕಳುಹಿಸಿದರು. ೧೪ ಇವರು ಬಂದು – ಬೋಧಕನೇ
ನೀನು ಸತ್ಯವಂತನು ಯಾರಿಗೂ ಹೆದರದವನು ನೀನು ಜನರ ಮುಖದಿಚ್ಚೆಗೆ ಮಾತಾಡದೆ ದೇವರ
ಮಾರ್ಗವನ್ನು ಸತ್ಯವಾಗಿ ಬೋಧಿಸುವವನಾಗಿದ್ದೀ ಎಂದು ಬಲ್ಲೆವು ಕೈಸರಿಗೆ ತೆರಿಗೆ ಕೊಡುವದು
ಸರಿಯೋ ಸರಿಯಲ್ಲವೋ , ೧೫ ಕೊಡಬೇಕೋ ಬೇಡವೋ ಎಂದು ಆತನನ್ನು ಕೇಳಿದರು ಆತನು
ಅವರ ಕಪಟವನ್ನು ತಿಳಿದು – ನನ್ನನ್ನು ಯಾಕೆ ಪರೀಕ್ಷೆ ಮಾಡುತ್ತೀರಿ? ನನಗೆ ಒಂದು ಹಣವನ್ನು
ತಂದು ತೋರಿಸಿರಿ ಅನ್ನಲು ಅವರು ತಂದರು. ೧೬ ಆಗ ಆತನು ಈ ತಲೆಯೂ ಮುದ್ರೆಯೂ
ಯಾರದು ಎಂದು ಕೇಳಿದ್ದಕ್ಕೆ ಅವರು ಕೈಸರನದು ಅಂದರು. ೧೭ ಯೇಸು- ಕೈಸರನದನ್ನು ಕೈಸರನಿಗೆ
ಕೊಡಿರಿ ದೇವರದನ್ನು ದೇವರಿಗೆ ಕೊಡಿರಿ ಎಂದು ಹೇಳಿದನು. ಅವರು ಆತನ ವಿಷಯದಲ್ಲಿ
ಬಹು ಆಶ್ಚರ್ಯಪಟ್ಟರು.

೧೮ ತರುವಾಯ ಸದ್ದುಕಾಯರು ಆತನ ಬಳಿಗೆ ಬಂದರು. ಇವರು ಪುನರುತ್ಥಾನವಿಲ್ಲ ಅನ್ನುವವರು
೧೯ ಇವರು ಆತನಿಗೆ ಪ್ರಶ್ನೆಮಾಡಿದ್ದೇನಂದರೆ – ಬೋಧಕನೇ ಅಣ್ಣನಾದವನು ಮಕ್ಕಳಿಲ್ಲದೆ
ಹೆಂಡತಿಯನ್ನು ಬಿಟ್ಟು ಸತ್ತರೆ ಆಕೆಯನ್ನು ಅವನ ತಮ್ಮನು ಮದುವೆಮಾಡಿಕೊಂಡು ತನ್ನ
ಅಣ್ಣನಿಗೆ ಸಂತಾನವನ್ನು ಪಡೆಯಬೇಕೆಂದು ಮೋಶೆಯು ನಮಗೆ ಬರೆದಿಟ್ಟನಷ್ಟೆ. ೨೦ ಏಳು
ಮಂದಿ ಅಣ್ಣತಮ್ಮಂದಿರಿದ್ದರು. ಮೊದಲನೆಯವನು ಹೆಂಡತಿಯನ್ನು ಮಾಡಿಕೊಂಡು
ಸಂತಾನವಿಲ್ಲದೆ ಸತ್ತನು. ಅದರಂತೆ ಮೂರನೆಯವನು. ೨೧ಎರಡನೆಯವನೂ ಆಕೆಯನ್ನು
ಮದುವೆಮಾಡಿಕೊಂಡು ಸಂತಾನವಿಲ್ಲದೆ ಸತ್ತನು. ಅದರಂತೆ ಮೂರನೆಯವನು ೨೨ ಇದೇ
ಪ್ರಕಾರ ಏಳು ಮಂದಿಯೂ ಸಂತಾನವಿಲ್ಲದೆ ಹೋದರು ಕಡೇಯಲ್ಲಿ ಆ ಸ್ತ್ರೀಯು ಸತ್ತಳು.

೨೩ ಪುನರುತ್ಥಾನದಲ್ಲಿ ಆಕೆ ಯಾರ ಹೆಂಡತಿಯಾಗಿರುವಳು. ? ಆಕೆಯನ್ನು ಏಳು ಮಂದಿಯೂ
ಮದುವೆಮಾಡಿಕೊಂಡಿದ್ದರಲ್ಲಾ ಅಂದನು. ೨೪ ಯೇಸು ಅವರಿಗೆ ನೀವು ಶಾಸ್ತ್ರವನ್ನಾದರೂ ದೇವರ
ಶಕ್ತಿಯನ್ನಾದರೂ ತಿಳಿಯದಿರುವದರಿಂದಲೇ ತಪ್ಪುವವರಾಗಿದ್ದೀರಲ್ಲವೆ ೨೫ ಸತ್ತವರು ಬದುಕಿ
ಎದ್ದಮೇಲೆ ಮದುವೆಮಾಡಿಕೊಳ್ಳುವದೂ ಇಲ್ಲ. ಮಾಡಿಕೊಡುವದೂ ಇಲ್ಲ. ಪರಲೋಕದಲ್ಲರುವ
ದೇವದೂತರಂತೆ ಇರುತ್ತಾರೆ. ೨೬ ಆದರೆ ಸತ್ತವರು ಬದುಕಿ ಬರುತ್ತಾರೆಂಬ ವಿಷಯದಲ್ಲಿ
ಹೇಳಬೇಕಾದರೆ ನಾನು ಅಬ್ರಹಾಮನ ದೇವರು ಇಸಾಕನ ದೇವರು ಯಾಕೋಬನ ದೇವರು
ಎಂದು ದೇವರು ಮೋಶೆಗೆ ನುಡಿದಿದ್ದನ್ನು ನೀವು ಮೋಶೆಯ ಗ್ರಂಥದಲ್ಲಿ ಓದಲಿಲ್ಲವೋ?
೨೭ ಆತನು ಜೀವಿತರಿಗೆ ದೇವರಾಗಿದ್ದಾನೆ ಹೊರತು ಜೀವವಿಲ್ಲದವರಿಗೆ ಅಲ್ಲ. ನೀವು ಹಿಡಿದ
ಅಬಿಪ್ರಾಯವು ಬಹು ತಪ್ಪಾಗಿದೆ ಎಂದು ಹೇಳಿದನು.
೨೮ ಶಾಸ್ತ್ರಿಗಳಲ್ಲಿ ಒಬ್ಬನು ಅವರ ತರ್ಕವನ್ನು ಕೇಳಿ ಯೇಸು ಅವರಿಗೆ ಉತ್ತರ ಕೊಟ್ಟನೆಂದು
ತಿಳಿದು ಹತ್ತಿರಕ್ಕೆ ಬಂದು – ಎಲ್ಲಾ ಆಜ್ಞೆಗಳಲ್ಲಿ ಮೊದಲನೆಯದು ಯಾವದು ಎಂದು ಆತನನ್ನು
ಕೇಳಿದ್ದಕ್ಕೆ ೨೯ ಯೇಸು – ಇಸ್ರಾಯೇಲ ಜನವೇ ಕೇಳು ನಮ್ಮ ದೇವರಾದ ಕರ್ತನು ಒಬ್ಬನೇ
ದೇವರು ೩೦ ನಿನ್ನ ದೇವರಾದ ಕರ್ತನನ್ನು ಪೂರ್ಣಹೃದಯದಿಂದಲೂ ಪೂರ್ಣ ಪ್ರಾಣದಿಂದಲೂ
ಪೂರ್ಣ ಬುದ್ದಿಯಿಂದಲೂ ಪೂರ್ಣ ಶಕ್ತಿಯಿಂದಲೂ ಪ್ರೀತಿಸಬೇಕು. ಎಂಬದೇ ಮೊದಲನೇ
ಆಜ್ಞೆ. ೩೧ ನಿನ್ನ ನೆರೆಯವನನ್ನು ನಿನ್ನಂತೆಯೇ ಪ್ರೀತಿಸಬೇಕು ಎಂಬದೇ ಎರಡನೆಯ ಆಜ್ಞೆ.
ಇವುಗಳಿಗಿಂತ ಹೆಚ್ಚಿ ಆಜ್ಞೆ ಮತ್ತೊಂದಿಲ್ಲ ಎಂದು ಉತ್ತರ ಕೊಟ್ಟನು. ೩೨ ಆಗ ಆ ಶಾಸ್ತ್ರಿಯು
– ಬೋಧಕನೇ ಚೆನ್ನಾಗಿ ಹೇಳಿದೆ ಒಬ್ಬನೆ ಇದ್ದಾನೆ, ಆತನ ಹೊರತು ಮತ್ತೊಬ್ಬ ದೇವರಿಲ್ಲ
ಎಂದು ನೀನು ಹೇಳಿದ್ದು ಸತ್ಯ. ೩೩ ಆತನನ್ನು ಪೂರ್ಣ ಮನಸ್ಸಿನಿಂದಲೂ ಪೂರ್ಣ ಬುದ್ದಿಯಿಂದಲೂ
ಪೂರ್ಣ ಶಕ್ತಿಯಿಂದಲೂ ಪ್ರೀತಿಸುವದು ಮತ್ತು ತನ್ನನ್ನು ಪ್ರೀತಿಸಿಕೊಳ್ಳುವಂತೆ ತನ್ನ ನೆರೆಯವನನ್ನು
ಪ್ರೀತಿಸುವದು ಇವೆರಡೂ ಎಲ್ಲಾ ಸರ್ವಾಂಗಹೋಮಗಳಿಗಿಂತಲೂ ಎಲ್ಲಾ ಯಜ್ಞಗಳಿಗಿಂತಲೂ
ಹೆಚ್ಚಿನವು ಅಂದನು. ಬೇಕು. ಎಂಬದೇ ಮೊದಲನೇ ಆಜ್ಞೆ.
೩೪ ಅವನು ಬುದ್ದಿಯಿಂದ ಉತ್ತರಕೊಟ್ಟದ್ದನ್ನು ಯೇಸು ಕಂಡು – ನೀನು ದೇವರ ರಾಜ್ಯಕ್ಕೆ
ದೂರವಾದವನಲ್ಲ ಅಂದನು. ಅಂದಿನಿಂದ ಆತನನ್ನು ಪ್ರಶ್ನೆಮಾಡುವದಕ್ಕೆ ಯಾರಿಗೂ
ಧೈರ್ಯವಿರಲಿಲ್ಲ.
೩೫ ಯೇಸು ದೇವಾಲಯದಲ್ಲಿ ಉಪದೇಶಮಾಡುತ್ತಿರಲಾಗಿ ಪ್ರಶ್ನೆ ಮಾಡಿ ಶಾಸ್ತ್ರಿಗಳು
ಬರಬೇಕಾದ ಕ್ರಿಸ್ತನನ್ನು ದಾವೀದನ ಮಗನೆಂದು ಹೇಳುತ್ತಾರಲ್ಲಾ ಅದು ಹೇಗಾದೀತು?
೩೬ ನಾನು ನಿನ್ನ ವಿರೋಧಿಗಳನ್ನು ನಿನ್ನ ಪಾದಗಳ ಕೆಳಗೆ ಹಾಕುವ ತನಕ ನನ್ನ ಬಲಗಡೆಯಲ್ಲಿ
ಕೂತುಕೊಂಡಿರು ಎಂದು ಕರ್ತನು ನನ್ನ ಒಡೆಯನಿಗೆ ನುಡಿದನು. ಎಂಬದಾಗಿ ದಾವೀದನೇ
ಪವಿತ್ರಾತ್ಮನ ಪ್ರೇರಣೆಯಿಂದ ಹೇಳಿದನು. ೩೭ ದಾವೀದನೇ ಆತನನ್ನು ಒಡೆಯನೆಂದು
ಹೇಳಿರುವಲ್ಲಿ ಆತನು ಅವನಿಗೆ ಮಗನಾಗುವದು ಹೇಗೆ? ಎಂದು ಹೇಳಿದನು.

### ಯೇಸು ಶಾಸ್ತ್ರಿಗಳ ವಿಷಯದಲ್ಲಿ ಎಚ್ಚರಿಕೆ ಹೇಳಿದ್ದು.

(ಮತ್ತಾ ೨೩. ಲೂಕ ೨೦. ೪೫- ೪೭)

೩೮ ಸಾಧಾರಣ ಜನರು ಆತನ ಮಾತನ್ನು ಸಂತೋಷದಿಂದ ಕೇಳುತ್ತಿದ್ದರು. ಆತನು
ಉಪದೇಶಮಾಡಿ ಹೇಳಿದ್ದೇನಂದರೆ – ಶಾಸ್ತ್ರಿಗಳ ವಿಷಯದಲ್ಲಿ ಎಚ್ಚರಿಕೆಯಾಗಿರಿ.
ನಿಲುವಂಗಿಗಳನ್ನು ತೊಟ್ಟುಕೊಂಡು ತಿರುಗಾಡುವದು ೩೯ ಅಂಗಡಿ ಬೀದಿಗಳಲ್ಲಿ ನಮಸ್ಕಾರಗಳು
ಸಭಾಮಂದಿರಗಳಲ್ಲಿ ಮುಖ್ಯ ಪೀಠಗಳು ಔತಣ ಪ್ರಸ್ತಗಳಲ್ಲಿ ಪ್ರಥಮ ಸ್ಥಾನಗಳು ಇವುಗಳಲ್ಲಿಯೇ
ಅವರು ಮನಸ್ಸುಳ್ಳವರಾಗಿದ್ದಾರೆ. ೪೦ ವಿಧವೆಯರ ಮನೆಗಳನ್ನು ನುಂಗಿ ನಟನೆಗಾಗಿ ದೇವರಿಗೆ
ಉದ್ದವಾದ ಪ್ರಾರ್ಥನೆಗಳನ್ನು ಮಾಡುವವರಾದ ಇವರು ಹೆಚ್ಚಾದ ದಂಡನೆಯನ್ನು ಹೊಂದುವರು.
ಅಂದನು.

### ದೇವರಿಗೆ ಕಾಣಿಕೆ ಕೊಡುವ ತಾರತಮ್ಯವನ್ನು ಕುರಿತು ಮಾತಾಡಿದ್ದು.

(ಲೂಕ ೨೧. ೧-೪ )

೪೧ ಯೇಸು ಬೊಕ್ಕಸದ ಮನೆಗೆ ಎದುರಾಗಿ ಕೂತುಕೊಂಡು ಜನರು ಬೊಕ್ಕಸದಲ್ಲಿ ಹಣ
ಹಾಕುವದನ್ನು ನೋಡುತ್ತಿದ್ದನು.ಅನೇಕ ಮಂದು ಐಶ್ವರ್ಯವಂತರು ಬಹಳ ಬಹಳ ಹಾಕುತ್ತಿರಲು
೪೨ ಒಬ್ಬ ಬಡ ವಿಧವೆಯು ಬಂದು ಎರಡು ಕಾಸು ಅಂದರೆ ಒಂದು ದುಗ್ಗಾಣಿ ಹಾಕಿದಳು. ೪೩ ಆಗ

ಆತನು ತನ್ನ ಶಿಷ್ಯರನ್ನು ಹತ್ತಿರಕ್ಕೆ ಕರೆದು – ನಿಮಗೆ ನಿಜವಾಗಿ ಹೇಳುತ್ತೇನೆಬೊಕ್ಕಸದಲ್ಲಿ
ಹಾಕಿದವರೆಲ್ಲರಲ್ಲಿ ಈ ಬಡ ವಿಧವೆ ಹೆಚ್ಚು ಹಾಕಿದ್ದಾಳೆ. ೪೪ ಹೇಗಂದರೆ,ಎಲ್ಲರೂ ತಮಗೆ ಸಾಕಾಗಿ
ಮಿಕ್ಕದ್ದರಲ್ಲಿ ಹಾಕಿದರು. ಈಕೆಯೋ ತನ್ನ ಬಡತನದಲ್ಲಿಯೂ ತನಗಿದ್ದದ್ದನ್ನೆಲ್ಲಾ ಹಾಕಿದಳು. ತನ್ನ
ಜೀವನವನ್ನೇ ಕೊಟ್ಟುಬಿಟ್ಟಳು ಅಂದನು.

### ಯೇಸು ಯೆರೂಸಲೇಮಿನ ನಾಶನವನ್ನು ಯುಗದ ಸಮಾಪ್ತಿಯನ್ನು ಮುಂದಾಗಿ ತಿಳಿಸಿದ್ದು.

(ಮತ್ತಾಯ ೨೪ ಲೂಕ ೨೧ ೫-೩೬)

೧೩ ೧ ಯೇಸು ದೇವಾಲಯವನ್ನು ಬಿಟ್ಟು ಹೋಗುತ್ತಿರಲು ಆತನ ಶಿಷ್ಯರಲ್ಲಿ ಒಬ್ಬನು
ಆತನಿಗೆ – ಗುರುವೇ ನೋಡು ಎಂಥಾ ಕಲ್ಲುಗಳು ಎಂಥಾ ಕಟ್ಟಡಗಳಯ. ಎಂದು
ಹೇಳಿದನು. ೨ ಯೇಸು – ಈ ದೊಡ್ಡ ಕಟ್ಟಡಗಳನ್ನು ನೋಡುತ್ತೀಯಾ? ಇಲ್ಲಿ ಕಲ್ಲಿನ ಮೇಲೆ ಕಲ್ಲು
ಉಳಿಯುವದಿಲ್ಲ. ಎಲ್ಲಾ ಕೆಡವಲ್ಪಡುವದು ಅಂದನು.
ಬಳಿಕಆತನು ಎಣ್ಣೇ ಮರಗಳ ಗುಡ್ಡದ ಮೇಲೆ ದೇವಾಲಯಕ್ಕೆ ಎದುರಾಗಿ ಕೂತಿದ್ದಾಗ ಪೇತ್ರ
ಯಾಕೋಬ ಯೋಹಾನ ಅಂದ್ರೇಯ, ೪ ಇವರು – ಅದು ಯಾವಾಗ ಆಗುವದು? ಅದೆಲ್ಲಾ
ನೆರವೇರುವದಕ್ಕಿರುವಾಗ ಯಾವ ಸೂಚನೆ ತೋರುವದು.ನಮಗೆ ಹೇಳು ಎಂದು ಆತನನ್ನು
ಪ್ರತ್ಯೇಕವಾಗಿ ಕೇಳಲು ೫ ಯೇಸು ಅವರಿಗೆ ಹೇಳಿದ್ದೇನಂದರೆ – ಯಾರಾದರೂ ನಿಮ್ಮನ್ನು
ಮೋಸಗೊಳಿಸಾರು ನೋಡಿಕೊಳ್ಳಿರಿ. ೬ ಅನೇಕರು ಬಂದು ನನ್ನ ಹೆಸರನ್ನು ಎತ್ತಿಕೊಂಡು
– ನಾನು ಕ್ರಿಸ್ತನು ನಾನು ಕ್ರಿಸ್ತನು ಎಂದು ಹೇಳಿ ಎಷ್ಟೋ ಜನರನ್ನು ಮೋಸಗೊಳಿಸುವರು.
೭ ಇದಲ್ಲದೆ ಯುದ್ಧಗಳಾಗುವದನ್ನೂ ಯುದ್ಧವಾಗುವ ಹಾಗಿದೆ ಎಂಬ ಸುದ್ದಿಗಳನ್ನೂ ನೀವು ಕ□ಳುವಾಗ
ಕಳವಳಪಡಬೇಡಿರಿ. ಹಾಗಾಗುವದು ಅಗತ್ಯ.. ಆದರೂ ಇದು ಇನ್ನೂ ಅಂತ್ಯಕಾಲವಲ್ಲ. ೮ ಜನಕ್ಕೆ
ವಿರೋಧವಾಗಿ ಜನವೂ ರಾಜ್ಯಕ್ಕೆ ವಿರೋಧವಾಗಿ ರಾಜ್ಯವೂ ಏಳುವವು. ಮತ್ತು ಭೂಕಂಪಗಳಯ
ಅಲ್ಲಿ ಆಗುವವು ಬರಗಳಯ ಬರುವವು. ಇವೆಲ್ಲಾ ನೂತನ ಕಾಲವು ಹುಟ್ಟುವ ಪ್ರಸವವೇಧನೆಯ
ಪ್ರಾರಂಭ
೯ ಆದರೆ ನಿಮ್ಮ ವಿಷಯದಲ್ಲಿ ನೋಡಿಕೊಳ್ಳಿರಿ. ನಿಮ್ಮನ್ನು ನ್ಯಾಯವಿಚಾರಣೆಯ ಸಭೆಗಳಿಗೆ
ಎಳಕೊಂಡು ಹೋಗುವರು. ಸಭಾಮಂದಿರಗಳಲ್ಲಿ ನಿಮ್ಮನ್ನು ಹೊಡೆಯುವರು. ನನ್ನ ನಿಮಿತ್ತವಾಗಿ
ನಿಮ್ಮನ್ನು ಅಧಿಪತಿಗಳ ಮುಂದೆಯೂ ಅರಸುಗಳ ಮುಂದೆಯೂ ಸಾಕ್ಷಿಗಳಾಗಿ ನಿಲ್ಲಿಸುವರು.
೧೦ ಮೊದಲು ಎಲ್ಲಾ ಜನಾಂಗಗಳಿಗೆ ಸುವಾರ್ತೆಯು ಸಾರಲ್ಪಡಬೇಕು. ೧೧ ನಿಮ್ಮನ್ನು ಹಿಡುಕೊಂಡು
ಹೋಗಿ ಒಪ್ಪಿಸುವಾಗ ಏನು ಹೇಳಬೇಕು ಎಂದು ಮುಚಿತವಾಗಿ ಚಿಂತೆ ಮಾಡಬೇಡಿರಿ.
ಆ ಗಳಿಗೆಯಲ್ಲಿ ನಿಮಗೆ ಸೂಚನೆಯಾಗುವಂತ ಮಾತನ್ನೆ ಆಡಿರಿ. ಮಾತಾಡುವವರು ನೀವಲ್ಲ.
ಪವಿತ್ರಾತ್ಮವೇ. ೧೨ ಇದಲ್ಲದೆ ಅಣ್ಣನು ತಮ್ಮನನ್ನು ತಂದೆಯು ಮಗನನ್ನು ಮರಣಕ್ಕೆ ಒಪ್ಪಿಸುವರು.
ಮಕ್ಕಳು ಹೆತ್ತವರ ಮೇಲೆ ತಿರುಗಿ ಬಿದ್ದು ಅವರನ್ನು ಕೊಲ್ಲಿಸುವರು ೧೩ ಮತ್ತು ನನ್ನ ಹೆಸರಿನ
ನಿಮಿತ್ತವಾಗಿ ನಿಮಗೆ ಎಲ್ಲರೂ ಹಗೆ ಮಾಡುವರು. ಆದರೆ ಕಡೇವರೆಗೆ ತಾಳುವವನು ರಕ್ಷಣೆ
ಹೊಂದುವನು.
೧೪ ಇದಲ್ಲದೆ ಹಾಳುಮಾಡುವ ಅಸಹ್ಯ ವಸ್ತುವು ನಿಲ್ಲಬಾರದ ಸ್ಥಳದಲ್ಲಿ ನಿತಿರುವದನ್ನು ನೀವು
ಕಾಣುವಾಗ ಇದಲ್ಲು ಓದುವವನು ತಿಳಿದುಕೊಳ್ಳಲಿ. ಯೂದಾಯದಲ್ಲಿರುವವರು ಬೆಟ್ಟಗಳಿಗೆ
ಓಡಿಹೋಗಲಿ. ೧೫ ಮಾಳಿಗೆಯ ಮೇಲೆ ಇರುವವನು ತನ್ನ ಮನೆಯೊಳಗಿಂದ ಏನಾದರೂ
ತೆಗೆದುಕೊಳ್ಳುವದಕ್ಕೆ ಇಳಿಯದೇ ಒಳಕ್ಕೆ ಹೋಗದೇ ೧೬ ಹೊಲದಲ್ಲಿರುವವನು ತನ್ನ
ಹೊದಿಕೆಯನ್ನು ತೆಗೆದುಕೊಳ್ಳುವದಕ್ಕೆ ಹಿಂತಿರಿಗಿ ಬಾರದೆ ಓಡಿಹೋಗಲಿ. ೧೭ ಆದರೆ
ಆ ದಿನಗಳಲ್ಲಿ ಬಸುರಿಯರಿಗೂ ಮೊಲೆಕೂಸಿರುವ ಹೆಂಗಸರಿಗೂ ಆಗುವ ಕಷ್ಟವನ್ನು
ಏನು ಹೇಳಲಿ. ೧೮ ೧೯ ಆ ದಿವಸಗಳು ಸಂಕಟ ದಿವಸಗಳಾಗಿರುವದರಿಂದ ಇದೆಲ್ಲಾ
ಚಳಿಗಾಲದಲ್ಲಿ ಆಗಬಾರದೆಂದು ಪ್ರಾರ್ಥನೆ ಮಾಡಿರಿ. ಅಂಥ ಸಂಕಟವು ದೇವರು ಮಾಡಿದ
ಸೃಷ್ಟಿಮೊದಲಗೊಂಡು ಇಂದಿನ ವರೆಗೆ ಆಗಲಿಲ್ಲ. ಇನ್ನು ಮೇಲೆಯೂ ಆಗುವದಿಲ್ಲ. ೨೦ ಕರ್ತನು
ಆ ದಿನಗಲನ್ನು ಕಡಿಮೆ ಮಾಡದಿದ್ದರೆ ಒಂದು ನರಪ್ರಾಣಿಯಾದರೂ ಉಳಿಯದು. ಆದರೆ
ತಾನು ಆದುಕೊಂಡವರಿಗೋಸ್ಕರ ಆ ದಿನಗಳನ್ನು ಕಡಿಮೆ ಮಾಡಿದ್ದಾನೆ. ೨೧ ಆಗ ಯಾರಾದರೂ
ನಿಮಗೆ – ಇಗೋ ಕ್ರಿಸ್ತನು ಇಲ್ಲಿದ್ದಾನೆ ಅಗೋ ಅಲ್ಲಿದ್ದಾನೆ ಎಂದು ಹೇಳಿದರೆ ನಂಬಬೇಡಿರಿ.
೨೨ ಸುಳ್ಳು ಕ್ರಿಸ್ತರು ಸುಳ್ಳು ಪ್ರವಾದಿಗಳು ಎದ್ದು ಸಾಧ್ಯವಾದರೆ ದೇವರಾದುಕೊಂಡವರನ್ನು

ಮೋಸಗೊಳಿಸುವದಕ್ಕೋಸ್ಕರ ಸೂಚಕಕಾರ್ಯಗಳನ್ನೂ ಅದ್ಭುತಕಾರ್ಯಗಳನ್ನೂ ಮಾಡಿ
ತೋರಿಸುವರು. ೨೩ ನೀವಂತು ನೋಡಿಕೊಳ್ಳಿರಿ. ನಿಮಗೆ ಎಲ್ಲವನ್ನು ಮುಂದಾಗಿ ಹೇಳಿದ್ದೇನೆ,
೨೪ ಇದಲ್ಲದೆ ಆ ದಿನಗಳಲ್ಲಿ ಆ ಸಂಕಟ ತೀರಿದ ಮೇಲೆ ಸೂರ್ಯನು ಕತ್ತಲಾಗಿ ಹೋಗುವನು.
೨೫ ಚಂದ್ರನು ಬೆಳಕುಕೊಡದೆ ಇರುವನು. ನಕ್ಷತ್ರಗಳಯ ಆಕಾಶದಿಂದ ಉದುರುವವು.
ಆಕಾಶದಲ್ಲಿರುವ ಶಕ್ತಿಗಳಯ ಕದಲುವವು. ೨೬ ಆಗ ಮನುಷ್ಯಕುಮಾರನು ಬಹು ಬಲದಿಂದಲೂ
ಮಹಿಮೆಯಿಂದಲೂ ಮೇಘಗಳಲ್ಲಿ ಬರುವದನ್ನು ಕಾಣುವಿರಿ. ೨೭ ಮತ್ತು ಆತನು ತನ್ನ ದೂತರನ್ನು
ಕಳುಹಿಸಿ ತಾನು ಆದುಕೊಂಡವರನ್ನು ಭೂಮಿಯ ಕಟ್ಟಕಡೆಯಿಂದ ಆಕಾಶದ ಕಟ್ಟಕಡೆಯವರೆಗೆ
ನಾಲ್ಕು ದಿಕ್ಕುಗಳಿಂದ ಒಟ್ಟುಗೂಡಿಸುವನು.
೨೮ ಅಂಜೂರದ ದೃಷ್ಟಾಂತದಿಂದ ಬುದ್ಧಿಕಲಿಯಿರಿ. ಅದರ ಕೊಂಬೆ ಇನ್ನೂ ಎಳೆದಾಗಿದ್ದು ಎಲೆ
ಬಿಡುವಾಗ ಬೇಸಿಗೆಯು ಹತ್ತಿವಾಯಿತೆಂದು ತಿಳುಕೊಳ್ಳುತ್ತೀರಲ್ಲಾ ೨೯ ಹಾಗೆಯೆ ನೀವು ಸಹ
ಇದೆಲ್ಲಾ ಆಗುವದನ್ನು ನೀವು ನೋಡುವಾಗ ಹತ್ತರವದೆ ಬಾಗಲ್ಲೇ ಅದೆ ಎಂದು ತಿಳುಕೊಳ್ಳಿರಿ.
೩೦ ಇದೆಲ್ಲಾ ಆಗುವ ತನಕ ಈ ಸಂತತಿಯು ಅಳಿದುಹೋಗುವದೇ ಇಲ್ಲವೆಂದು ನಿಮಗೆ ಸತ್ಯವಾಗಿ
ಹೇಳುತ್ತೇನೆ. ೩೧ ಭೂಮ್ಯಾಕಾಶಗಳು ಅಳಿದು ಹೋಗುವವು ಆದರೆ ನನ್ನ ಮಾತುಗಳು ಅಳಿದು
ಹೋಗುವದೇ ಇಲ್ಲ.
೩೨ ಇದಲ್ಲದೆ ಆ ದಿವದ ವಿಷಯವಾಗಲಿ ನನ್ನ ತಂದೆಗೆ ತಿಳಿಯುವದೇ ಹೊರತು ಮತ್ತಾರಿಗೂ
ತಿಳಿಯದು ಪರಲೋಕದಲ್ಲಿರುವ ದೂತರಿಗೂ ತಿಳಿಯದು ಮಗನಿಗೂ ತಿಳಿಯದು. ೩೩ ಆ ಕಾಲವು
ಯಾವಾಗ ಬರುವದೋ ನಿಮಗೆ ಗೊತ್ತಲ್ಲವಾದ್ದರಿಂದ ನೋಡಿಕೊಳ್ಳಿರಿ ಜಾಗರೂಕರಾಗಿರಿ.
೩೪ ಒಬ್ಬ ಮನುಷ್ಯನು ತನ್ನ ಮನೆಯನ್ನು ಬಿಟ್ಟು ಬೇರೊಂದು ದೇಶಕ್ಕೆ ಹೋಗುವಾಗ ತನ್ನ ಆಳುಗಳಿಗೆ
ಮನೇ ಆಡಳಿತವನ್ನು ಒಪ್ಪಿಸಿಕೊಟ್ಟು ಒಬ್ಬೊಬ್ಬನಿಗೆ ಅವನವನ ಕೆಲಸವನ್ನು ನೇಮಿಸಿ ಬಾಗಿಲು
ಕಾಯುವವನನ್ನು ಕರೆದು – ನೀನು ಎಚ್ಚರವಾಗಿಬೇಕೆಂದು ಅಪ್ಪಣೆ ಕೊಡುವ ಪ್ರಕಾರ ನಾನು
ನಿಮಗೆ ಅಪ್ಪಣೆ ಕೊಡುತ್ತೇನೆ. ೩೫ ಯಜಮಾನನು ಸಂಜೆಯಲ್ಲೋ ಸರುಹೊತ್ತಿನಲ್ಲೋ ಕೋಳಿ
ಕೂಗುವಾಗಲೋ ಮುಂಜಾನೆಯಲ್ಲೋ ಯಾವಾಗ ಬರುತ್ತಾನೋ ನಿಮಗೆ ಗೊತ್ತಿಲ್ಲದ ಕಾರಣ
ಎಚ್ಚರವಾಗಿರಿ. ೩೬ ಅವನು ಏಕಾಏಕಿ ಬಂದು ನೀವು ನಿದ್ದೆ ಮಾಡುವದನ್ನು ಕಂಡಾನು. ೩೭ ನಾನು
ನಿಮಗೆ ಹೇಳಿದ್ದನ್ನು ಎಲ್ಲರಿಗೂ ಹೇಳುತ್ತೇನೆ ಎಚ್ಚರವಾಗಿರಿ ಅಂದನು.

### ಅಧಿಕಾರಸ್ಥರು ಯೇಸುವನ್ನು ಕೊಲ್ಲುವದಕ್ಕೆ ಉಪಾಯ ಮಾಡಿದ್ದು ;<br>ಒಬ್ಬ ಸ್ತ್ರೀಯು ಪರಿಮಳ ತೈಲವನ್ನು ಆತನ ಮೇಲೆ ಹೊಯಿದದ್ದು.

(ಮತ್ತಾ ೨೬. ೧-೧೬; ಲೂಕ ೨೨. ೧-೬; ಯೋಹಾ .೧೧.೪೭-೫೩; ೧೨. ೧-೮)

೧೪ ೧ ಪಸ್ಕದ ಮತ್ತು ಹುಳಿಯಿಲ್ಲದ ರೊಟ್ಟಿಯ ಹಬ್ಬ ಬರುವದಕ್ಕೆ ಇನ್ನೂ ಎರಡು ದಿನಗಳಿದ್ದಾಗ
ಮಹಾಯಾಜಕರೂ ಶಾಸ್ತ್ರಿಗಳೂ ಯೇಸುವನ್ನು ಉಪಾಯದಿಂದ ಹಿಡಿದು ಕೊಲ್ಲುವದಕ್ಕೆ
ಮಾರ್ಗವನ್ನು ಹುಡುಕುತ್ತಿದ್ದರು. ೨ ಯಾಕಂದರೆ ಹಬ್ಬದಲ್ಲಿ ಹಿಡಿಯಬಾರದು. ನಮ್ಮ ಜನರಲ್ಲಿ
ಗದ್ದಲವಾದೀತು ಎಂದು ಮಾತಾಡಿಕೊಂಡರು.
೩ ಆತನು ಬೇಥಾನ್ಯದಲ್ಲಿ ಕುಷ್ಠರೋಗಿಯಾದ ಸೀಮೋನನ ಮನೆಯಲ್ಲಿ ಇದ್ದು ಊಟಕ್ಕೆ
ಕೂತಿದ್ದಾಗ ಒಬ್ಬ ಸ್ತ್ರೀಯು ಬಹು ಬೆಲೆಯುಳ್ಳ ಅಚ್ಚ ಜಟಮಾಂಸಿ ಲೈಲದ ಭರಣಿಯನ್ನು
ತೆಗೆದುಕೊಂಡು ಬಂದು ಭರಣಿಯನ್ನು ಒಡೆದು ತೈಲವನ್ನು ಆತನ ತಲೆಯ ಮೇಲೆ ಹೊಯಿದಳು.
೪ ಆದರೆ ಕೆಲವರು ತಮ್ಮೊಳಗೆ ಕೋಪಗೊಂಡು - ಈ ತೈಲವನ್ನು ನಷ್ಟಮಾಡಿದ್ದೇಕೆ? ೫ ಇದನ್ನು
ಮುನ್ನೂರು ಹಣಕ್ಕಿಂತ ಹೆಚ್ಚು ಬೆಲೆಗೆ ಮಾರಿ ಬಡವರಿಗೆ ಕೊಡಬಹುದಾಗಿತ್ತಲ್ಲಾ. ಎಂದು
ಹೇಳಿ ಆಕೆಗೆ ಛೀ ಹಾಕಿದರು. ೬ ಆದರೆ ಯೇಸು ಆಕೆಯನ್ನು – ಬಿಡಿರಿ ಈಕೆಗೆ ಯಾಕೆ
ತೊಂದರೆ ಕೊಡುತ್ತೀರಿ. ಈಕೆ ನನಗೆ ಒಳ್ಳೇ ಕಾರ್ಯವನ್ನು ಮಾಡಿದ್ದಾಳೆ. ೭ ಬಡವರು ಯಾವಾಗಲೂ
ನಿಮ್ಮ ಬಳಿಯಲ್ಲಿ ಇರುತ್ತಾರೆ.ನಿಮಗೆ ಮನಸ್ಸು ಬಂದಾಗ ಅವರಿಗೆ ಉಪಕಾರ ಮಾಡಬಹುದು
ಆದರೆ ನಾನು ಯಾವಾಗಲೂ ನಿಮ್ಮ ಬಳಿಯಲ್ಲಿ ಇರುವುದಿಲ್ಲ. ೮ ಈಕೆಯು ತನ್ನ ಕೈಲಾಗುವಷ್ಟು
ಮಾಡಿದ್ದಾಳೆ. ಈಕೆಯು ಮುಂದಾಗಿ ನನ್ನ ಉತ್ತರಕ್ರಿಯೆಗೋಸ್ಕರ ನನ್ನ ದೇಹಕ್ಕೆ ಈ ತೈಲವನ್ನು
ಹಚ್ಚಿದ್ದಾಳೆ. ೯ ಸುವಾರ್ತೆಯು ಸರ್ವಲೋಕದಲ್ಲಿ ಎಲ್ಲೆಲ್ಲಿ ಸಾರಲಾಗುವದೋ ಅಲ್ಲಲ್ಲಿ ಈಕೆ
ಮಾಡಿದ್ದನ್ನು ಸಹ ಈಕೆಯ ನೆನಪಿಗಾಗಿ ಹೇಳುವರೆಂದು ನಿಮಗೆ ಸತ್ಯವಾಗಿ ಹೇಳುತ್ತೇನೆ
ಅಂದನು. ೧೦ ಆ ಮೇಲೆ ಹನ್ನೆರಡು ಮಂದಿ ಶಿಷ್ಯರಲ್ಲಿ ಒಬ್ಬನಾದ ಇಸ್ಕರಿಯೋತ ಯೂದನು
ಯೇಸುವನ್ನು ಮಹಾಯಾಜಕರಿಗೆ ಹಿಡುಕೊಡಬೇಕಂತ ಅವರ ಬಳಿಗೆ ಹೋದನು. ೧೧ ಅವರು

ಕೇಳಿ ಸಂತೋಷಪಟ್ಟು - ನಿನಗೆ ಹಣಕೊಡುತ್ತೇವೆಂದು ಮಾತುಕೊಟ್ಟರು. ಅವನು ಆತನನ್ನು
ಅನುಕೂಲವಾಗಿ ಹಿಡುಕೊಡುವದು ಹೇಗೆ ಎಂದು ನೋಡುತ್ತಿದ್ದನು.

### ಯೇಸು ತನ್ನ ಶಿಷ್ಯರ ಸಂಗಡ ಕಡೇ ಬೋಜನವನ್ನು ಮಾಡಿದ್ದು.

(ಮತ್ತಾ ೨೬ .೧೭-೨೦; ಲೂಕ ೨೨. ೭-೨೩; ಯೋಹಾ ೧೩. ೨೧ – ೩೦ )

೧೨ ಹುಳಿಯಿಲ್ಲದ ರೊಟ್ಟಿಯ ಹಬ್ಬದ ಮೊದಲನೆಯ ದಿವಸ ಅಂದರೆ ಪಸ್ಕದ ಕುರಿಮರಿಯನ್ನು
ಕೊಯ್ಯುವ ದಿವಸ ಆತನ ಶಿಷ್ಯರು - ನೀನು ಪಸ್ಕದ ಊಟ ಮಾಡುವಂತೆ ನಾವು ಎಲ್ಲಿ ಹೋಗಿ
ಸಿದ್ದಮಾಡಬೇಕೆನ್ನುತ್ತಿ ಎಂದು ಆತನನ್ನು ಕೇಳಲು, ೧೩ ಆತನು ತನ್ನ ಶಿಷ್ಯರಲ್ಲಿ ಇಬ್ಬರನ್ನು ಕರೆದು
ನೀವು ಪಟ್ಟಣದೊಳಕ್ಕೆ ಹೋಗಿರಿ. ಅಲ್ಲಿ ಒಬ್ಬ ಮನುಷ್ಯನು ತುಂಬಿದ ಕೊಡವನ್ನು ಹೊತ್ತುಕೊಂಡು
ನಿಮ್ಮೆದುರಿಗೆ ಬರುವನು. ನೀವು ಅವನ ಹಿಂದೆ ಹೋಗಿರಿ. ೧೪ ಅವನು ಯಾವ ಮನೆಗೆ
ಹೋಗುವನೋ ಆ ಮನೆಯ ಯಜಮಾನನಿಗೆ –ನಮ್ಮ ಭೋಧಕನು ತನ್ನ ಶಿಷ್ಯರ ಸಂಗಡ ಪಸ್ಕದ
ಊಟವನ್ನು ಮಾಡುವದಕ್ಕೆ ತನಗೆ ಬೋಜನ ಶಾಲೆ ಎಲ್ಲಿ ಎಂದು ಕೇಳುತ್ತಾನೆ ಎಂಬದಾಗಿ ಹೇಳಿರಿ.
೧೫ ಅವನು ತಕ್ಕ ಸಾಮಾನೆಲ್ಲಾ ಸಿದ್ದವಾಗಿ ಇಟ್ಟಿರುವ ಮೇಲಂತಸ್ತಿನ ದೊಡ್ಡ ಕೊಠಡಿಯನ್ನು
ನಿಮಗೆ ತೋರಿಸುವನು. ಅಲ್ಲಿ ನಮಗೆ ಸಿದ್ದಮಾಡಿರಿ ಎಂದು ಹೇಳಿ ಅವರನ್ನು ಕಳುಹಿಸಿ
ಕೊಟ್ಟನು. ೧೬ ಶಿಷ್ಯರು ಹೊರಟು ಪಟ್ಟಣಕ್ಕೆ ಹೋಗಿ ಆತನು ತಮಗೆ ಹೇಳಿದಂತೆ ಕಂಡು ಪಸ್ಕಕ್ಕೆ
ಸೌರಿಸಿದರು.

೧೭ ಸಂಜೆಯಾದಾಗ ಆತನು ಹನ್ನೆರಡು ಮಂದಿ ಶಿಷ್ಯರ ಸಂಗಡ ಬಂದನು. ೧೮ ಅವರು
ಕೂತುಕೊಂಡು ಊಟಮಾಡುತ್ತಿರುವಾಗ ಯೇಸು- ನಿಮ್ಮಲ್ಲಿ ಒಬ್ಬನು ನನನ್ನು ಹಿಡುಕೊಡುವನು.
ಅವನು ನನ್ನ ಸಂಗಡ ಊಟಮಾಡುವವನೇ ಎಂದು ನಿಮಗೆ ಸತ್ಯವಾಗಿ ಹೇಳುತ್ತೇನೆ ಅಂದನು.
೧೯ ಆಗ ಅವರು ದುಃಖಿತರಾಗಿ ನಾನಲ್ಲವನ್ನಾ ನಾನಲ್ಲವನ್ನಾ ಎಂದು ಒಬ್ಬೊಬ್ಬರೂ ಆತನನ್ನು
ಕೇಳತೊಡಗಿದರು. ೨೦ ಆತನು ಅವರಿಗೆ ಅವನು ನನ್ನ ಹನ್ನೆರಡು ಮಂದಿಯಲ್ಲಿ ಒಬ್ಬನು.
ನನ್ನ ಸಂಗಡ ಬಟ್ಟಲ್ಲಿ ಕೈ ಅದ್ದುವವನೇ ೨೧ ಮನುಷ್ಯಕುಮಾರನು ಹೊರಟುಹೋಗುತ್ತಾನೆ ಸರಿ.
ಹಾಗೆ ಆತನ ವಿಷಯವಾಗಿ ಬರೆದಿದೆಯಲ್ಲಾ. ಆದರೆ ಯಾವನು ಮನುಷ್ಯಕುಮಾರನನ್ನು
ಹಿಡುಕೊಡುವನೋ ಅವನ ಗತಿಯನ್ನು ಏನು ಹೇಳಲಿ ಆ ಮನುಷ್ಯನು ಹುಟ್ಟದಿದ್ದರೆ ಅವನಿಗೆ
ಒಳ್ಳೇದಾಗಿತ್ತು.

೨೨ ಅವರು ಊಟಮಾಡುತ್ತಿರುವಾಗ ಆತನು ರೊಟ್ಟಿಯನ್ನು ತೆಗೆದುಕೊಂಡು ದೇವರ ಸ್ತೋತ್ರ
ಮಾಡಿ ಮುರಿದು ಅವರಿಗೆ ಕೊಟ್ಟು- ತಕ್ಕೊಳ್ಳಿರಿ ಇದು ನನ್ನ ದೇಹ ಅಂದನು. ೨೩ ಆ ಮೇಲೆ
ಪಾತ್ರೆಯನ್ನು ತೆಗೆದುಕೊಂಡು ಸ್ತೋತ್ರಮಾಡಿ ಅವರಿಗೆ ಕೊಟ್ಟನು. ಅವರೆಲ್ಲರೂ ಅದರಲ್ಲಿ
ಕುಡಿದರು. ೨೪ ಮತ್ತು ಆತನು ಅವರಿಗೆ ಇದು ನನ್ನ ರಕ್ತ. ಇದು ಒಡಂಬಡಿಕೆಯ ರಕ್ತ. ಇದು
ಬಹು ಜನರಿಗೋಸ್ಕರ ಸುರಿಸಲ್ಪಡುವ ರಕ್ತ ೨೫ ನಿಮಗೆ ಸತ್ಯವಾಗಿ ಹೇಳುತ್ತೇನೆ. ನಾನು
ದೇವರ ಜಾಜ್ಯದಲ್ಲಿ ದ್ರಾಕ್ಷಾರಸವನ್ನು ಹೊಸದಾಗಿ ಕುಡಿಯುವ ದಿನದ ವರೆಗೂ ಅದನ್ನು ಇನ್ನು
ಕುಡಿಯುವದೇ ಇಲ್ಲ ಅಂದನು.

### ಯೇಸು ಗೆತ್ಸೇಮನೆ ತೋಟಕ್ಕೆ ಹೋಗಿ ಪ್ರಾರ್ಥಿಸಿದ್ದು.
### ಯೂದನು ಆತನನ್ನು ಶತ್ರುಗಳಿಗೆ ಹಿಡುಕೊಟ್ಟದ್ದು.

(ಮತ್ತಾ ೨೬. ೩೦-೩೬ ; ಲೂಕ ೨೨. ೩೧-೫೩; ಯೋಹಾ ೧೩. ೩೬-೩೮,೧೮.೧-೧೧)

೨೬ ಬಳಿಕ ಅವರು ಕೀರ್ತನೆ ಹಾಡಿ ಎಣ್ಣೇಮರಗಳ ಗುಡ್ಡಕ್ಕೆ ಹೊರಟು ಹೋದರು.
೨೭ ಆಗ ಯೇಸು ಅವರಿಗೆ – ನೀವೆಲ್ಲರೂ ದಿಗಿಲುಪಟ್ಟು ಹಿಂಜರಿಯುವಿರಿ. ಕುರುಬನನ್ನು
ಹೊಡೆಯುವೆನು ಕುರಿಗಳು ಚದುರಿ ಹೋಗುವವು ಎಂದು ಬರೆದಿದೆಯಲ್ಲಾ. ೨೮ ಆದಾಗ್ಯು
ನಾನು ಜೀವಿತನಾಗಿ ಎದ್ದ ಮೇಲೆ ನಿಮ್ಮ ಮುಂದೆ ಗಲಿಲಾಯಕ್ಕೆ ಹೋಗುವೆನು. ಎಂದು
ಹೇಳಿದನು. ೨೯ ಆದರೆ ಪೇತ್ರನು ಆತನಿಗೆ –ಎಲ್ಲರೂ ದಿಗಿಲುಪಟ್ಟು ಹಿಂಜರಿದರೂ ನಾನು
ಹಿಂಜರಿಯುವದಿಲ್ಲ. ಎಂದು ಹೇಳಲು ೩೦ ಯೇಸು – ನಿನಗೆ ಸತ್ಯವಾಗಿ ಹೇಳುತ್ತೇನೆ ಈ ಹೊತ್ತು
ಈ ರಾತ್ರಿಯಲ್ಲಿಯೇ ಕೋಳಿ ಎರಡು ಸಾರಿ ಕೂಗುವದಕ್ಕಿಂತ ಮುಂಚೆ ನೀನು ನನ್ನ ವಿಷಯದಲ್ಲಿ
- ಅವನನ್ನು ಅರಿಯೆನೆಂಬದಾಗಿ ಮೂರು ಸಾರಿ ಹೇಳುವಿ ಅಂದನು. ೩೧ ಆದರೆ ಅವನು ನಾನು
ನಿನ್ನ ಸಂಗಡ ಸಾಯಬೇಕಾದರೂ ನಿನ್ನನ್ನು ಅರಿಯೆನೆಂಬದಾಗಿ ಹೇಳುವದೇ ಇಲ್ಲವೆಂದು ಬಹು
ಖಂಡಿತವಾಗಿ ಮಾತಾಡಿದನು. ಅದರಂತೆ ಅವರೆಲ್ಲರೂ ಹೇಳಿದರು.

೩೨ ತರುವಾಯ ಅವರು ಗೆತ್ಸೇಮನೆ ಎಂಬ ತೋಟಕ್ಕೆ ಬಂದರು. ಆತನು ತನ್ನ ಶಿಷ್ಯರಿಗೆ
– ಇಲ್ಲೇ ಕೂತುಕೊಳ್ಳಿರಿ ನಾನು ಪ್ರಾರ್ಥನೆ ಮಾಡಿ ಬರುತ್ತೇನೆ ಎಂದು ಹೇಳಿ ಪೇತ್ರ
ಯಾಕೋಬ ಯೋಹಾನರನ್ನು ತನ್ನ ಜೊತೆಯಲ್ಲಿ ಕರಕೊಂಡು ಹೋಗಿ ೩೩ ಬೆಚ್ಚಬೆರಗಾಗಿ
ಮನಗುಂದಿದವನಾದನು. ೩೪ ಮತ್ತು ಅವರಿಗೆ ನನ್ನ ಪ್ರಾಣವು ಸಾಯುವಷ್ಟು ದುಃಖಕ್ಕೆ ಒಳಗಾಗಿದೆ
ನೀವು ಇಲ್ಲೇ ಇದ್ದು ಎಚ್ಚರವಾಗಿರ್ರಿ ಎಂದು ಹೇಳಿ ಸ್ವಲ್ಪ ಮುಂದೆ ಹೋಗಿ ನೆಲದ ಮೇಲೆ
ಅಡ್ಡಬಿದ್ದು ೩೫ ಸಾಧ್ಯವಾದರೆ ಆ ಗಳಿಗೆ ತನ್ನನ್ನು ಬಿಟ್ಟುಹೋಗುವಂತೆ ದೇವರನ್ನು ಪ್ರಾರ್ಥಿಸಿ,
೩೬ ಅಪ್ಪಾ ತಂದೆಯೇ ನಿನಗೆ ಎಲ್ಲವೂ ಸಾಧ್ಯ. ಈ ಪಾತ್ರೆಯನ್ನು ನನ್ನಿಂದ ತೊಲಗಿಸು ಆದರೂ
ನನ್ನ ಚಿತ್ತದಂತಾಗದೆ ನಿನ್ನ ಚಿತ್ತದಂತೆಯೇ ಆಗಲಿ ಅಂದನು. ೩೭ ಆ ಮೇಲೆ ಆತನು ಬಂದು
ಅವರು ನಿದ್ದೆ ಮಾಡುವದನ್ನು ಕಂಡು ಪೇತ್ರನಿಗೆ – ಸೀಮೋನನೇ ನಿದ್ದೆಮಾಡುತ್ತೀಯಾ? ಒಂದು
ಗಳಗೆಯಾದರೂ ಎಚ್ಚರವಾಗಿರಲಾರೆಯಾ? ೩೮ ಶೋಧನೆಗೆ ಒಳಗಾಗದಂತೆ ಎಚ್ಚರವಾಗಿದ್ದು
ಪ್ರಾರ್ಥಿಸಿರಿ. ಮನಸ್ಸು ಸಿದ್ಧವಾಗಿದೆ ಸರಿ. ಆದರೆ ದೇಹಕ್ಕೆ ಬಲ ಸಾಲದು ಎಂದು ಹೇಳಿದನು.
೩೯ ಆ ಮೇಲೆ ತಿರಿಗಿ ಹೋಗಿ ಅದೇ ಮಾತನ್ನು ಹೇಳುತ್ತಾ ಪ್ರಾರ್ಥಿಸಿದನು. ೪೦ ತಿರಿಗಿ
ಬಂದಾಗ ಅವರು ನಿದ್ದೆ ಮಾಡುವದನ್ನು ಕಂಡನು. ಅವರ ಕಣ್ಣುಗಳು ಬಹು ಬಾರವಾಗಿದ್ದವು. ಮತ್ತು
ಆತನು ಕೇಳಿದ್ದಕ್ಕೆ ಏನು ಉತ್ತರ ಕೊಡಬೇಕೋ ಅವರಿಗೆ ತಿಳಿಯಲಿಲ್ಲ. ೪೧ ಆತನು ಮೂರನೆ
ಸಾರಿ ಹೋಗಿ ಬಂದು ಅವರಿಗೆ – ನೀವು ಇನ್ನು ನಿದ್ದೆ ಮಾಡಿ ಧಣುವಾರಿಸಿಕೊಳ್ಳಿರಿ. ಸಾಕು.
೪೨ ಆ ಗಳಿಗೆ ಬಂತು ಇಗೋ ಮನುಷ್ಯಕುಮಾರನು ದುರ್ಜನರ ಕೈಗೆ ಒಪ್ಪಿಸಲ್ಪಡುತ್ತಾನೆ.ಏಳಿರಿ
ಹೋಗೋಣ. ನನ್ನನ್ನು ಹಿಡುಕೊಡುವವನು ಹತ್ತಿರಕ್ಕೆ ಬಂದಿದ್ದಾನೆ. ನೋಡಿರಿ ಎಂದು
ಹೇಳಿದನು.

೪೩ ಆತನು ಇನ್ನೂ ಮಾತಾಡುತ್ತಿರುವಾಗಲೇ ಹನ್ನೆರಡುಮಂದಿ ಶಿಷ್ಯರಲ್ಲಿ ಒಬ್ಬನಾದ
ಯೂದನು ಬಂದನು. ಮಹಾಯಾಜಕರು ಶಾಸ್ತ್ರಿಗಳು ಹಿರಿಯರು ಇವರ ಕಡೆಯಿಂದ ಒಂದು
ಗುಂಪು ಕತ್ತಿದೊಣ್ಣೆಗಳನ್ನು ಹಿಡುಕೊಂಡು ಅವನ ಸಂಗಡ ಬಂತು. ೪೪ ಇದಲ್ಲದೆ ಆತನನ್ನು
ಹಿಡುಕೊಡುವವನು ಅವರಿಗೆ ನಾನು ಯಾರಿಗೆ ಮುದ್ದಿಡುತ್ತೇನೊ ಅವನೇ ಆತನು. ಅವನನ್ನು
ಹಿಡಿದು ಭದ್ರವಾಗಿ ತೆಗೆದುಕೊಂಡು ಹೋಗಿರಿ ಎಂದು ಗುರುತು ಹೇಳಿಕೊಟ್ಟಿದ್ದನು.
೪೫ ಅಲ್ಲಿಗೆ ಬಂದ ಕೂಡಲೇ ಅವನು ಯೇಸುವಿನ ಬಳಿಗೆ ಹೋಗಿ – ಗುರುವೇ ಎಂದು
ಹೇಳಿ ಆತನಿಗೆ ಮುದ್ದಿಡಲು ೪೬ ಅವರು ಆತನ ಮೇಲೆ ಕೈಹಾಕಿ ಆತನನ್ನು ಹಿಡಿದರು.
೪೭ ಆದರೆ ಹತ್ತಿರ ನಿಂತಿದ್ದವರಲ್ಲಿ ಒಬ್ಬನು ತನ್ನ ಕತ್ತಿಯನ್ನು ಹಿರಿದು ಮಹಾಯಾಜಕನ ಆಳನ್ನು
ಹೊಡೆದು ಅವನ ಕಿವಿಯನ್ನು ಕಡಿದು ಹಾಕಿದನು. ೪೮ ಅವರು ಯೇಸುವನ್ನು ಹಿಡಿದಾಗ
ಆತನು ಅವರಿಗೆ – ಕಳ್ಳನನ್ನು ಹಿಡಿಯುವದಕ್ಕೆ ಬಂದಂತೆ ಕತ್ತಿಗಳನ್ನೂ ದೊಣ್ಣೆಗಳನ್ನೂ
ತೆಗೆದುಕೊಂಡು ನನ್ನನ್ನು ಹಿಡಿಯುವದಕ್ಕೆ ಬಂದಿರಾ? ೪೯ ನಾನು ದಿನಾಲು ನಿಮ್ಮ ಸಂಗಡ
ದೇವಾಲಯದಲ್ಲಿ ಬೋಧಿಸುತ್ತಿದ್ದಗ ನೀವು ನನ್ನನ್ನು ಹಿಡಿಯಲಿಲ್ಲ. ಆದರೆ ಶಾಸ್ತ್ರ ವಚನಗಳು
ನೆರವೇರುವಂತೆ ಇದೆಲ್ಲಾ ಆಯಿತು. ಎಂದು ಉತ್ತರ ಕೊಟ್ಟನು. ೫೦ ಆಗ ಶಿಷ್ಯರೆಲ್ಲರು ಆತನನ್ನು
ಬಿಟ್ಟು ಓಡಿಹೋದರು.

೫೧ ಒಬ್ಬಾನೊಬ್ಬ ಯೌವನಸ್ಥನು ಬರೀ ಮೈಮೇಲೆ ನಾರುಮಡಿಯನ್ನು ಹೊದ್ದವನಾಗಿ ಆತನ
ಹಿಂದೆ ಜನರ ಕೂಡ ಬರುತ್ತಿದ್ದನು ೫೨ ಅವರು ಆತನನ್ನು ಹಿಡಿಯಲಾಗಿ ಅವನು ಆ ನರುಮಡಿಯನ್ನು
ನಿಟ್ಟು ಬರೀ ಮೈಲಿ ಓಡಿಹೋದನು.

### ಹಿರೀ ಸಭೆಯವರು ಯೇಸುವನ್ನು ಮರಣದಂಡನೆಗೆ ತಕ್ಕವನೆಂದು ತೀರ್ಪುಮಾಡಿ ದೇಶಾಧಿಪತಿಯ ಬಳಿಗೆ ತೆಗೆದುಕೊಂಡು ಹೋದದ್ದು ಪೇತ್ರನು ಯೇಸುವನ್ನು ನಾನರಿಯೆನೆಂದು ಹೇಳಿದ್ದು.

(ಮತ್ತು ೨೬. ೫೭-೭೫ ; ಲೂಕ ೨೨. ೫೪- ೭೧; ಯೋಹಾ .೧೮. ೧೨-೨೭)

೫೩ ಅಷ್ಟರಲ್ಲಿ ಅವರು ಯೇಸುವನ್ನು ಮಹಾಯಾಜಕನ ಬಳಿಗೆ ತೆಗೆದುಕೊಂಡು ಹೋದರು.
ಇವನ ಬಳಿಗೆ ಮಹಾಯಾಜಕರು ಹಿರಿಯರು ಶಾಸ್ತ್ರಿಗಳು ಇವರೆಲ್ಲರೂ ಕೂಡಿಬಂದರು. ೫೪ ಮತ್ತು
ಪೇತ್ರನು ದೂರದಿಂದ ಆತನ ಹಿಂದೆ ಹೋಗುತ್ತಾ ಮಹಾಯಾಜಕನ ಮಠದ ಅಂಗಳದೊಳಗೂ
ಬಂದು ಓಲೇಕಾರರ ಸಂಗಡ ಬೆಂಕಿಯ ಮುಂದೆ ಕೂತು ಚಳಿಕಾಯಿಸಿಕೊಳ್ಳುತ್ತಿದ್ದನು. ೫೫ ಆಗ
ಮಹಾಯಾಜಕರು ಹೀರಿಸಭೆಯವರೆಲ್ಲರೂ ಯೇಸುವನ್ನು ಕೊಲ್ಲಿಸಬೇಕೆಂದು ಆತನ ಮೇಲೆ
ಸಾಕ್ಷಿಯನ್ನು ಹುಡುಕಿದರು. ಆದರೆ ಏನೂ ಸಿಕ್ಕಲಿಲ್ಲ. ೫೬ ಬಹು ಮಂದಿ ಬಂದು ಆತನ ಮೇಲೆ ಸುಳ್ಳು

ಸಾಕ್ಷಿ ಹೇಳಿದರೂ ಅವರ ಸಾಕ್ಷಿ ಒಂದಕ್ಕೊಂದು ಸರಿಬೀಳಲಿಲ್ಲ. ೫೭ ೫೮ ತರುವಾಯ ಕೆಲವರು ಎದ್ದು
ನಿಂತು ಕೈಯಿಂದ ಕಟ್ಟಿರುವ ಈ ದೇವಾಲಯವನ್ನು ನಾನು ಕೆಡವಿಬಿಟ್ಟು ಕೈಯಿಂದ ಕಟ್ಟದಿರುವ
ಮತ್ತೊಂದನ್ನು ಮೂರು ದಿವಗಳಲ್ಲಿ ಕಟ್ಟುವೆನು. ಎಂದು ಇವನು ಹೇಳಿದ್ದನ್ನು ನಾವು ಕೇಳಿದ್ದೇವೆ.
ಎಂಬುದಾಗಿ ಆತನ ಮೇಲೆ ಸುಳ್ಳುಸಾಕ್ಷಿ ಹೇಳಿದರು. ೫೯ ಹೇಗೆ ಹೇಳಿದರೂ ಅವರ ಸಾಕ್ಷಿ
ಒಂದಕ್ಕೊಂದು ಸರಿ ಬೀಳಲಿಲ್ಲ. ೬೦ ಆಗ ಮಹಾಯಾಜಕರು ಎದ್ದು ನಡುವೆ ನಿಂತು – ನೀನೇನೂ
ಉತ್ತರ ಹೇಳುವುದಿಲ್ಲವೋ? ಇವರು ನಿನ್ನ ಮೇಲೆ ಹೇಳುವ ಈ ಸಾಕ್ಷಿ ಏನು? ಎಂದು ಯೇಸುವನ್ನು
ಪ್ರಶ್ನಿಸಿದನು. ೬೧ ಆದರೆ ಆತನು ಸುಮ್ಮನಿದ್ದು ಏನೂ ಉತ್ತರ ಕೊಡಲಿಲ್ಲ. ತಿರಿಗಿ ಮಹಾಯಾಜಕನು
– ಭಗವಂತನ ಕುಮಾರನಾದ ಯೇಸುಕ್ರಿಸ್ತನೋ ನೀನು? ಎಂದು ಆತನನ್ನು ಕೇಳಲಾಗಿ ೬೨ ಯೇಸು
ನಾನೇ ಇದಲ್ಲದೆ ಮನುಷ್ಯಕುಮಾರನು ಸರ್ವಶಕ್ತನ ಬಲಗಡೆಯಲ್ಲಿ ಆಸೀನನಾಗಿರುವದನ್ನು ಆಕಾಶದ
ಮೇಘಗಳೊಂದಿಗೆ ಬರುವದನ್ನೂ ನೋಡುವಿರಿ. ಅಂದನು. ೬೩ ಇದನ್ನು ಕೇಳಿ ಮಹಾಯಾಜಕನು
ತನ್ನ ಅಂಗಿಗಳನ್ನು ಹರಕೊಂಡು ನಮಗೆ ಸಾಕ್ಷಿಗಳು ಇನ್ನೂ ಯಾತಕ್ಕೆ ಬೇಕು? ೬೪ ಇವನು ಮಾಡಿದ
ದೂಷಣೆಯನ್ನು ಕೇಳಿದಿರಲ್ಲಾ ನಿಮಗೆ ಹೇಗೆ ಕಾಣುತ್ತದೆ. ಅನ್ನಲು ಅವರೆಲ್ಲರು –ಇವನು ಮರಣ
ದಂಡನೆ ಹೊಂದತಕ್ಕವನು ಎಂದು ತೀರ್ಪು ಮಾಡಿದರು. ೬೫ ಆಮೇಲೆ ಕೆಲವರು ಆತನ ಮೇಲೆ
ಉಗುಳಿ ಆತನ ಮುಖಕ್ಕೆ ಮುಸುಕು ಹಾಕಿ ಗುದ್ದಿ – ಪ್ರವಾದನೆ ಹೇಳು ಅನ್ನುತ್ತಿದ್ದರು. ಮತ್ತು
ಓಲೇಕಾರರು ಆತನ ಕೆನ್ನೆಗೆ ಏಟು ಹಾಕುತ್ತಾ ತಮ್ಮ ವಶಕ್ಕೆ ತೆಗೆದುಕೊಂಡರು.
೬೬ ಇತ್ತಲಾಗಿ ಪೇತ್ರನು ಕೆಳಗೆ ಅಂಗಳದಲ್ಲಿ ಇದ್ದಾಗ ಮಹಾಯಾಜಕನ ದಾಸಿಯರಲ್ಲಿ
ಒಬ್ಬಳು ಬಂದು ಅವನು ಚಳಿಕಾಯಿಸಿಕೊಳ್ಳುತ್ತಿರುವದನ್ನು ಕಂಡು ೬೭ ಅವನನ್ನು ನೋಡಿ-
ನೀನು ಸಹ ಆ ನಜರೇತಿನವನಾದ ಯೇಸುವಿನ ಕೂಡ ಇದ್ದವನು ಅಂದಳು ೬೮ ಅವನು ಅಲ್ಲ.
ನೀನು ಏನನ್ನುತ್ತೀಯೋ ನನಗೆ ಗೊತ್ತಿಲ್ಲ.ತಿಳಿಯುವದಿಲ್ಲ ಎಂದು ಹೇಳಿ ಹೊರಂಗಳಕ್ಕೆ
ಹೋದನು. ೬೯ ಅಲ್ಲಿ ದಾಸಿಯು ಅವನನ್ನು ಕಂಡು ಹತ್ತರದಲ್ಲಿ ನಿಂತಿದ್ದವರಿಗೆ –ಇವನು ಅವರಲ್ಲಿ
ಒಬ್ಬನು ಎಂದು ತಿರಿಗಿ ಹೇಳುವದಕ್ಕೆ ತೊಡಗಿದಳು. ೭೦ ಅವನು ತಿರಿಗಿ ಅಲ್ಲ ಎಂದನು.
ಸ್ವಲ್ಪ ಹೊತ್ತನ ಮೇಲೆ ಅಲ್ಲಿ ನಿಂತವರು ಪೇತ್ರನಿಗೆ – ನಿಶ್ಚಯವಾಗಿ ನೀನು ಅವರಲ್ಲಿ
ಒಬ್ಬನು , ನೀನು ಗಲಿಲಾಯದವನಷ್ಟೆ ಎಂದು ತಿರಿಗಿ ಹೇಳಿದರು. ೭೧ ಆದರೆ ಅವನು –
ನೀವು ಹೇಳುವ ಆ ಮನುಷ್ಯನನ್ನು ನಾನರಿಯೇನು ಎಂದು ಹೇಳಿ ಶಪಿಸಿ ಕೊಳ್ಳುವದಕ್ಕೂ
ಆಣೆಯಿಟ್ಟುಕೊಳ್ಳುವದಕ್ಕೂ ಪ್ರಾರಂಬಿಸಿದನು. ಕೂಡಲೆ ಕೋಳಿ ಎರಡನೇಯ ಸಾರಿ ಕೂಗಿತು.
೭೨ ಆಗ ಪೇತ್ರನು – ಕೋಳಿ ಎರಡು ಸಾರಿ ಕೂಗುವದಕ್ಕಿಂತ ಮುಂಚೆ ಮೂರು ಸಾರಿ ನನ್ನ
ವಿಷಯವಾಗಿ ಅವನನ್ನು ಅರಿಯೆನೆಂಬದಾಗಿ ಹೇಳುವಿ ಎಂದು ಯೇಸು ತನಗೆ ಹೇಳಿದ
ಮಾತನ್ನು ನೆನಪಿಗೆ ತಂದುಕೊಂಡು ಆವಿಷಯದಲ್ಲಿ ಯೋಚಿಸಿ ಅತ್ತನು.

### ಪಿಲಾತನು ಯೇಸುವನ್ನು ವಿಚಾರಿಸಿ ಆತನಲ್ಲಿ ಅಪರಾಧವಿಲ್ಲವೆಂದು ಕಂಡರೂ ಆತನನ್ನು ಮರಣದಂಡನೆಗೆ ಒಪ್ಪಿಸಿದ್ದು.

(ಮತ್ತಾ ೨೭.೧,೨ ೧೧-೨೬; ಲೂಕ ೨೩. ೧-೨೩; ಯೋಹಾ.೧೮.೨೮-೧೯.೧೬)

೧೫ ೧ ಬೆಳಗಾದ ಕೂಡಲೆ ಮಹಾಯಾಜಕರು ಹಿರಿಯರೂ ಶಾಸ್ತ್ರಿಗಳೂ
ಹಿರೀಸಭೆಯವರೆಲ್ಲರೂ ಒಟ್ಟುಗೂಡಿ ಆಲೋಚನೆ ಮಾಡಿಕೊಂಡು
ಯೇಸುವನ್ನು ಕಟ್ಟಿ ತೆಗೆದುಕೊಂಡು ಹೋಗಿ ಪಿಲಾತನಿಗೆ ಒಪ್ಪಿಸಿದರು. ೨ ಪಿಲಾತನು ಆತನನ್ನು
– ನೀನು ಯೆಹೂದ್ಯರ ಅರಸನು ಹೌದೋ ಎಂದು ಕೇಳಲು ಆತನು – ನೀನೇ ಹೇಳಿದ್ದೀ ಎಂದು
ಉತ್ತರ ಕೊಟ್ಟನು. ೩-೪ ಮಹಾಯಾಜಕರು ಆತನ ಮೇಲೆ ತುಂಬಾ ದೂರು ಹೇಳುತ್ತಿದ್ದರು. ಆಗ
ಪಿಲಾತನು ಇನ್ನೊಂದಾವರ್ತಿ ಆತನನ್ನು – ನೀನು ಏನೂ ಉತ್ತರ ಕೊಡುವುದಿಲ್ಲವೇ? ಇವರು
ನಿನ್ ಮೇಲೆ ಎಷ್ಟು ದೂರುಗಳನ್ನು ಹೇಳುತ್ತಾರೆ ನೋಡು ಎಂದು ಕೇಳಿದನು. ೫ ಆದರೆ ಯೇಸು
ಇನ್ನೇನೂ ಉತ್ತರ ಕೊಡಲಿಲ್ಲ. ಅದನ್ನು ನೋಡಿ ಪಿಲಾತನು ಆಶ್ಚರ್ಯಪಟ್ಟನು.
೬ ಅವನು ಆ ಹಬ್ಬದಲ್ಲಿ ಜನರು ಬೇಡಿದ ಸೆರೆಯವನನ್ನು ಅವರಿಗೆ ಬಿಟ್ಟುಕೊಡುವ
ಪದ್ಧತಿಯಿತ್ತು. ೭ ಆಗ ಬರಬ್ಬನೆಂಬವನೊಬ್ಬನಿದ್ದನು. ಇವನನ್ನು ದಂಗೆಯಲ್ಲಿ ಕೊಲೆಪಾತಕ
ಮಾಡಿದ ದಂಗೆಗಾರರ ಕೂಡ ಕಟ್ಟಿಹಾಕಿದ್ದರು. ೮ ಜನರು ಪಿಲಾತನ ಬಳಿಗೆ ಹೋಗಿ, ನೀನು
ನಮಗೆ ಮಾಡುತ್ತಾ ಬಂದ ಪ್ರಕಾರ ಮಾಡು ಎಂದು ಬೇಡಿಕೊಳ್ಳುತ್ತಿದ್ದರು. ೯-೧೦ ಮಹಾಯಾಜಕರು
ಹೊಟ್ಟೆಕಿಚ್ಚಿನಿಂದ ಯೇಸುವನ್ನು ಒಪ್ಪಿಕೊಟ್ಟಿದ್ದಾರೆಂದು ಪಿಲಾತನು ಗ್ರಹಿಸಿಕೊಂಡು – ನಾನು
ಯಹೋದ್ಯರ ಅರಸನನ್ನು ನಿಮಗೆ ಬಿಟ್ಟುಕೊಡಬೇಕನ್ನುತ್ತೀರೋ? ಎಂದು ಅವರನ್ನು ಕೇಳಿದನು.

೧೧ ಅತ್ತಲಾಗಿ ಮಹಾಯಾಜಕರು – ಬರಬ್ಬನನ್ನೇ ಬಿಟ್ಟುಕೊಡಬೇಕೆಂದು ಬೇಡಿಕೊಳ್ಳಿರಿ
ಎಂಬದಾಗಿ ಜನರನ್ನು ಪ್ರೇರಿಪಿಸಿದರು. ೧೨ ಅದಕ್ಕೆ ಪಿಲಾತನು ತಿರಿಗಿ ಅವರನ್ನು – ಹಾಗಾದರೆ
ನೀವು ಹೇಳುವ ಯೆಹೂದ್ಯರ ಅರಸನನ್ನು ನಾನೇನು ಮಾಡಲಿ? ಎಂದು ಕೇಳಲು, ೧೩ ಅವರು –
ಅವನನ್ನು ಶಿಲುಬೆಗೆ ಹಾಕಿಸು ಎಂದು ತಿರಿಗಿ ಬೊಬ್ಬೆ ಹಾಕಿದರು. ೧೪ ಪಿಲಾತನು – ಯಾಕೆ ?
ಕೆಟ್ಟದ್ದೇನು ಮಾಡಿದನು.? ಅಂದರು.ಆದರೆ ಅವರು – ಅವನನ್ನು ಶಿಲುಬೆಗೆ ಹಾಕಿಸು ಎಂದು
ಬಹಳವಾಗಿ ಅರ್ಭಟಿಸಿದರು. ೧೫ಅದಕ್ಕೆ ಪಿಲಾತನು ಜನರ ಮನಸ್ಸನ್ನು ಸಮಾದಾನಪಡಿಬೇಕೆಂದು
ಬರಬ್ಬನನ್ನು ಅವರಿಗೆ ಬಿಟ್ಟುಕೊಟ್ಟು ಯೇಸುವನ್ನು ಕೊರಡೆಗಳಿಂದ ಹೊಡಿಸಿ ಶಿಲುಬೆಗೆ
ಹಾಕುವದಕ್ಕೆ ಒಪ್ಪಿಸಿದನು.

### ಯೇಸುವನ್ನು ಪರಿಹಾಸ್ಯ ಮಾಡಿ ಶಿಲುಬೆಗೆ ಹಾಕಿದ್ದು ಆತನು ಪ್ರಾಣಬಿಟ್ಟಿದ್ದು.

(ಮತ್ತಾ ೨೭. ೨೭- ೫೬; ಲೂಕ ೨೩. ೨೬-೪೯; ಯೋಹಾ ೧೯. ೧೭-೩೦)

೧೬ ಸಿಪಾಯಿಗಳು ಆತನನ್ನು ಅಧಿಪತಿಯ ಅರಮನೆಗೆ ಸೇರಿದ ಅಂಗಳದೊಳಕ್ಕೆ
ಸಾಗಿಸಿಕೊಂಡು ಹೋಗಿ ಪಟಾಮನ್ನೆಲ್ಲಾ ಒಟ್ಟಿಗೆ ಕರೆದು, ೧೭ ಆತನಿಗೆ ಕೆಂಪು ಒಲ್ಲಿಯನ್ನು
ಹೊದಿಸಿ ಮುಳ್ಳಿನ ಕೀರಿಟವನ್ನು ಹೆಣೆದು ಆತನಿಗಿಟ್ಟು - ೧೮ ಯೆಹೂದ್ಯರ ಅರಸನೇ ನಿನಗೆ
ನಮಸ್ಕಾರ ಎಂದು ಆತನಿಗೆ ಒಂದನೆ ಮಾಡಿ ೧೯ ಬೆತ್ತದಿಂದ ಆತನ ತಲೆಯ ಮೇಲೆ ಹೊಡೆದು
ಆತನ ಮೇಲೆ ಉಗುಳಿ ಆತನ ಮುಂದೆ ಮೊಣಕಾಲೂರಿ ಅಡ್ಡಬಿದ್ದರು. ೨೦ ಹೀಗೆ ಆತನನ್ನು
ಪರಿಹಾಸ್ಯ ಮಾಡಿದ ಮೇಲೆ ಆ ಒಲ್ಲಿಯನ್ನು ತೆಗೆದು ಆತನ ಬಟ್ಟೆಗಳನ್ನು ಹೊದಿಸಿ ಆತನನ್ನು
ಶಿಲುಬೆಗೆ ಹಾಕುವದಕ್ಕೆ ತೆಗೆದುಕೊಂಡು ಹೋದರು.
೨೧ ಆಗ ಹೊಲದಿಂದ ಹೊರಟು ಆ ಮಾರ್ಗವಾಗಿ ಬರುತ್ತಿದ್ದ ಒಬ್ಬನನ್ನು ಆತನ ಶಿಲುಬೆಯನ್ನು
ಹೊರುವದಕ್ಕೆ ಬಿಟ್ಟೀ ಹಿಡಿದರು. ಇವನು ಯಾರೆಂದರೆ – ಅಲೆಕ್ಸಾಂದ್ರ ರೂಫ ಎಂಬವರ
ತಂದೆಯಾದ ಕುರೇನ ಪಟ್ಟಣದ ಸೀಮೋನನು. ೨೨ ಬಳಿಕ ಆತನನ್ನು ಗೊಲ್ಗೊಥಾ ಎಂಬ ಸ್ಥಳಕ್ಕೆ
ಕರಕೊಂಡು ಬಂದರು. ಗೊಲ್ಗೊಥಾ ಅಂದರೆ ಕಪಾಲ ಸ್ಥಳ ೨೩ ಅಲ್ಲಿ ಆತನಿಗೆ ರಕ್ತಬೋಳ
ಬೆರಸಿದ ದ್ರಾಕ್ಷಾರಸವನ್ನು ಕೊಟ್ಟರು. ಆದರೆ ಆತನು ತೆಗೆದುಕೊಳ್ಳಲಿಲ್ಲ. ೨೪ ಅವರು ಅತನನ್ನು
ಶಿನುಬೆಗೆ ಹಾಕಿ ಆತನ ಬಟ್ಟೆಗಳಲ್ಲಿ ಯಾವಯಾವದು ಯಾರಾರಿಗೆ ಆಗಬೇಕೆಂದು ಚೀಟುಹಾಕಿ
ಪಾಲುಮಾಡಿಕೊಂಡರು. ೨೫ ಆತನನ್ನು ಶಿಲುಬೆಗೆ ಹಾಕುವಾಗ ಹೊತ್ತಾರೆ ಒಂಬತ್ತು ಗಂಟೆಯಾಗಿತ್ತು
೨೬ ಇದಲ್ಲದೆ ಅವರು ಹೊರಿಸಿದ ಅಪರಾಧವನ್ನು ಸೂಚಿಸುವ ಒಂದು ವಿಳಾಸವು ಶಿಲುಬೆಯ
ಮೇಲೆ ಬರೆದಿತ್ತು ಅದೇನಂದರೆ – ಯೆಹೂದ್ಯರ ಅರಸನು ಎಂಬದೇ ೨೭ ಅದಲ್ಲದೆ ಇಬ್ಬರು
ಕಳ್ಳರನ್ನು ತಂದು ಒಬ್ಬಣ್ನು ಆತನ ಬಲಗಡೆಯಲ್ಲಿ ಒಬ್ಬನನ್ನು ಎಡಗಡೆಯಲ್ಲಿ ಆತನ ಸಂಗಡ ಶಿಲುಬೆಗೆ
ಹಾಕಿದರು. ೨೮ ೨೯ಅಲ್ಲಿ ಹಾದು ಹೋಗುವವರು ತಲೇ ಆಡಿಸಿ ಆಹಾ ದೇವಾಲಯವನ್ನಯ ಕೆಡವಿ
ಮೂರು ದಿನದಲ್ಲಿ ಕಟ್ಟುವವನೇ , ೩೦ ಶಿಲುಬೆಯಿಂದ ಇಳಿದು ನಿನ್ನನ್ನು ರಕ್ಷಿಸಿಕೋ ಎಂದು
ಆತನನ್ನು ಹಂಗಿಸುತ್ತಿದ್ದರು. ೩೧ ಅದೇ ಮೇರೆಗೆ ಮಹಾಯಾಜಕರೂ ಶಾಸ್ತ್ರಿಗಳೂ – ಅವನು
ಮತ್ತೊಬ್ಬರನ್ನು ರಕ್ಷಿಸಿದನು. ತನ್ನನ್ನು ರಕ್ಷಿಸಿ ಕೊಳ್ಳಲಾರನು. ೩೨ ಇಸ್ರಾಯೇಲ್ಯರ ಅರಸನಾದ ಈ
ಕ್ರಿಸ್ತನು ಈಗ ಶಿಲುಬೆಯಿಂದ ಇಳಿದು ಬರಲಿ. ಇಳಿದು ಬಂದರೆ ನಾವು ನೋಡಿಕೊ ನಂಬೇವು.
ಎಂದು ತಮ್ಮತಮ್ಮೊಳಗೆ ಹಾಸ್ಯದಿಂದ ಮಾತಾಡುತ್ತಿದ್ದರು. ಆತನ ಸಂಗಡ ಶಿಲುಬೆಗೆ ಹಾಕಲ್ಪಟ್ಟವರು
ಸಹ ಆತನನ್ನು ನಿಂದಿಸುತ್ತಿದ್ದರು.
೩೩ ಮದ್ಯಾಹ್ನವಾದಾಗ ಆ ದೇಶದ ಮೇಲೆಲ್ಲಾ ಕತ್ತಲು ಕವಿದು ಸಾಯಂಕಾಲ ಮೂರು ಗಂಟೆಯ
ತನಕ ಇತ್ತು. ೩೪ ಮೂರು ಟೆಗೆ ಯೇಸು – ಎಲೋಹಿ ಎಲೋಹಿ ಲಮಾ ಸಬಾಕ್ತಾನಿ ಅಂದರೆ
ನನ್ನ ದೇವರೇ ನನ್ನ ದೇವರೇ ಯಾಕೆ ನನ್ನನ್ನು ಕೈಬಿಟ್ಟಿದ್ದೀ. ಎಂದು ಮಹಾ ದ್ವನಿಯಿಂದ
ಕೂಗಿದನು. ೩೫ ಹತ್ತರ ನಿಂತಿದ್ದವರಲ್ಲಿ ಕೆಲವರು ಅದನ್ನು ಕೇಳಿ – ಎಲೀಯನನ್ನು ಕರೆಯುತ್ತಾನೆ
ಕಾಣಿರೋ ಅಂದರು. ೩೬ ಆಗ ಒಬ್ಬನು ಓಡಿಹೋಗಿ ಸ್ಪಂಜನ್ನು ಹುಳಿರಸದಿಂದ ತುಂಬಿಸಿ
ಕೋಲಿಗೆ ಸಿಕ್ಕಿಸಿ ಆತನಿಗೆ ಕುಡಿಯುವದಕ್ಕೆ ಕೊಟ್ಟು – ಬಿಡಿರಿ ಎಲೀಯನು ಇವನನ್ನು
ಇಳಿಸುವದಕ್ಕೆ ಬರುವನೇನೋ ನೋಡೋಣ ಅಂದರು. ೩೭ ಆದರೆ ಯೇಸು ಮಹಾ ದ್ವನಿಯನ್ನು
ಗೈದು ಪ್ರಾಣ ಬಿಟ್ಟನು. ೩೮ ಆಗ ದೇವಾಲಯದ ತೆರೆಯು ಮೇಲಿಂದ ಕೆಳಗಿನ ವರೆಗೂ
ಹರಿದು ಎರಡು ಭಾಗವಾಯಿತು. ೩೯ ಆತನು ಹೀಗೆ ಪ್ರಾಣಬಿಟ್ಟದ್ದನ್ನು ಆತನ ಹತ್ತರ ಎದುರಿಗೆ
ನಿಂತಿದ್ದ ಶತಾಧಿಪತಿಯು ನೋಡಿ – ನಿಜವಾಗಿ ಈ ಮನುಷ್ಯನು ದೇವಕುಮಾರನಾಗಿದ್ದನು
ಅಂದನು. ೪೦-೪೧ ಇದಲ್ಲದೆ ಅಲ್ಲಿ ಸ್ತ್ರೀಯರು ಸಹ ದೂರದಿಂದ ನೋಡುತ್ತಿದ್ದರು. ಇವರಲ್ಲಿ

ಆತನು ಗಲಿಲಾಯದಲ್ಲಿದ್ದಾಗ ಆತನನಶನು ಹಿಂಬಾಲಿಸಿ ಸೇವೆಮಾಡುತ್ತಿದ್ದವರಾದ ಮಗ್ದಲದ ಮರಿಯ,ಚಿಕ್ಕ ಯಾಕೋಬನ ಮತ್ತು ಯೋಸೆಯ ತಾಯಿಯಾದ ಮರಿಯ , ಸಲೋಮೆ ಎಂಬವರೂ ಆತನ ಸಂಗಡ ಯೆರೂಸಲೇಮಿಗೆ ಇನ್ನೂ ಅನೇಕ ಸ್ತ್ರೀಯರೂ ಇದ್ದರು.

### ಶಿಷ್ಯರು ಯೇಸುವಿನ ದೇಹವನ್ನು ಸಮಾಧಿಯಲ್ಲಿಟ್ಟದ್ದು.

(ಮತ್ತಾ ೨೭. ೫೭- ೬೧; ಲೂಕ ೨೩. ೫೦- ೫೬; ಯೋಹಾ ೧೯. ೩೮- ೪೨)

[೪೨] ಆಗಲೇ ಸಂಜೆಯಾಗಿತ್ತು ಮತ್ತು ಆ ದಿನವು ಸೌರಣೆಯ ದಿನ ಅಂದರೆ ಸಬ್ಬತದಿನದ
ಹಿಂದಿನ ದಿನ ಆಗಿತ್ತು. [೪೩] ಹೀಗಿರಲಾಗಿ ಅರಿಮಥಾಯದ ಯೋಸೆಫನೆಂಬವನು
ಬಂದು ಧೈರ್ಯದಿಂದ ಪಿಲಾತನ ಬಳಿಗೆ ಹೋಗಿ ಯೇಸುವಿನ ದೇಹವನ್ನು ತನಗೆ
ಕೊಡಿಸಬೇಕೆಂದು ಬೇಡಿಕೊಂಡನು. ಇವನು ಹಿರಿಸಭೆಯಲ್ಲಿ ಘನವಂತನು. ದೇವರ
ರಾಜ್ಯವನ್ನು ಎದುರುನೋಡುತ್ತಿದ್ದನು. [೪೪] ಪಿಲಾತನು- ಅವನು ಇಷ್ಟು ಬೇಗ ಸತ್ತನೋ ಎಂದು
ಆಶ್ಚರ್ಯಪಟ್ಟು ಶತಾಧಿಪತಿಯನ್ನು ಕರಿಸಿ – ಅವನು ಆಗಲೇ ಸತ್ತನೋ ಎಂದು ಅವನನ್ನು ಕೇಳಿ
[೪೫] ಆತನು ಸತ್ತದ್ದನ್ನು ಶತಾಧಿಪತಿಯಿಂದ ತಿಳಿದು ಶವವನ್ನು ಯೋಸೇಫನಿಗೆ ಕೊಡಿಸಿದನು.
[೪೬] ಯೋಸೇಫನು ನಾರುಮಡಿಯನ್ನು ಕೊಂಡು ತಂದು ಆತನನ್ನು ಇಳಿಸಿ ನಾರುಮಡಿಯಲ್ಲಿ ಸುತ್ತಿ
ಬಂಡೆಯಲ್ಲಿ ತೋಡಿದ್ದ ಸಮಾಧಿಯಲ್ಲಿಟ್ಟು ಸಮಾಧಿಯ ಬಾಗಲಿಗೆ ಕಲ್ಲನ್ನು ಉರುಳಿಸಿದನು.
[೪೭] ಮಗ್ದಲದ ಮರಿಯಳೂ ಯೋಸೆಯ ತಾಯಿ ಮರಿಯಳೂ ಆತನನ್ನಿಡುವ ಸ್ಥಳವನ್ನು
ನೋಡಿದರು.

### ಸ್ತ್ರೀಯರು ಯೇಸುವಿನ ಸಮಾಧಿಯು ಖಾಲಿಯಾಗಿರುವದನ್ನು ಕಂಡು ದೂತರ ದರ್ಶನವನ್ನು ನೋಡಿದ್ದು.

(ಮತ್ತಾ ೨೮. ೧-೮; ಲೂಕ ೨೪. ೧-೧೦; ಯೋಹಾ ೨೦.೧)

೧೬ [೧] ಸಬ್ಬತ ದಿ ಕಳೆದ ಮೇಲೆ ಮಗ್ದಲದ ಮರಿಯಳೂ ಯಾಕೋಬನ ತಾಯಿ ಮರಿಯಳೂ
ಸಲೋಮೆಯೂ ಆತನ ದೇಹಕ್ಕೆ ಹಚ್ಚುವದಕ್ಕಾಗಿ ಸುಗಂಧ ದ್ರವ್ಯಗಳನ್ನು ಕೊಂಡರು.
[೨] ಮತ್ತು ವಾರದ ಮೊದಲನೇಯ ದಿನದ ಬೆಳಿಗ್ಗೆ ಹೊತ್ತು ಮೂಡುವಾಗ ಅವರು ಸಮಾಧಿಯ
ಬಳಿಗೆ ಬಂದರು. [೩] ಸಮಾಧಿಗೆ ಮುಚ್ಚಿದ ಕಲ್ಲು ಬಹಳ ದೊಡ್ಡದಾಗಿದ್ದರಿಂದ ಅವರು – ಸಮಾಧಿಯ
ಬಾಗಲಿಂದ ಆ ಕಲ್ಲನ್ನು ನಮಗೋಸ್ಕರ ಉರುಳಿಸುವರು ಯಾರಿದ್ದಾರೆ ? [೪] ಎಂದು ತಮ್ಮತಮ್ಮೊಳಗೆ
ಮಾತಾಡಿಕೊಳ್ಳುತ್ತಾ ಇರಲಾಗಿ ತಲೆಯೆತ್ತಿ ನೋಡಿ ಆ ಕಲ್ಲು ಉರುಳಿಸಲ್ಪಟ್ಟಿರುವದನ್ನು
ಕಂಡರು. [೫] ಅವರು ಸಮಾಧಿಯೊಳಕ್ಕೆ ಹೋಗಿ ಒಬ್ಬ ಯೌವನಸ್ಥನು ಬಿಳಿ ಅಂಗಿಯನ್ನು
ತೊಟ್ಟುಕೊಂಡು ಬಲಗಡೆ ಕೂತಿರುವದನ್ನು ಕಂಡು ಬೆಚ್ಚಿಬೆರಗಾದರು. [೬] ಅವನು ಅವರಿಗೆ –
ಬೆರಗಾಗಬೇಡಿರಿ.ಶಿಲುಬೆಗೆ ಹಾಕಲ್ಪಟ್ಟಿದ್ದ ನಜರೇತಿನ ಯೇಸುವನ್ನು ಹುಡುಕುತ್ತಿರಲ್ಲವೇ.
ಆತನು ಜೀವಿತನಾಗಿ ಎದ್ದಿದ್ದಾನೆ ಇಲ್ಲಿ ಇಲ್ಲ. ಆತನನ್ನು ಇಟ್ಟಿದ್ದ ಸ್ಥಳ ಇದೇ ನೋಡಿರಿ. [೭] ಆದರೆ
ನೀವು ಹೋಗಿ ಆತನ ಶಿಷ್ಯರಿಗೂ ಪೇತ್ರನಿಗೂ – ಆತನು ನಿಮಗೆ ಹೇಳಿದಂತೆ ನಿಮ್ಮ ಮುಂದೆ
ಗಲಿಲಾಯಕ್ಕೆ ಹೋಗುತ್ತಾನೆ. ಅಲ್ಲಿ ಆತನನ್ನು ಕಾಣುವಿರಿ.ಎಂದು ತಿಳಿಸಿರಿ ಎಂದು ಹೇಳಿದನು.
[೮] ಅವರು ಭ್ರಮೆ ಹಿಡಿದವರಾಗಿ ನಡುಗುತ್ತಾ ಹೊರಕ್ಕೆ ಬಂದು ಸಮಾಧಿಯ ಬಳಿಯಿಂದ
ಓಡಿಹೋದರು. ಅವರು ಹೆದರಿಕೊಂಡದ್ದರಿಂದ ಯಾರಿಗೂ ಏನೂ ಹೇಳಲಿಲ್ಲ.

### ಯೇಸು ಜೀವಿತನಾಗಿ ಎದ್ದಮೇಲೆ ತನ್ನ ಶಿಷ್ಯರಿಗೆ ಕಾಣಸಿಕೊಂಡಿದ್ದು.

[೯] ವಾರದ ಮೊದಲನೆಯ ದಿನ ಬೆಳಿಗ್ಗೆ ಯೇಸು ಜೀವಿತನಾಗಿ ಎದ್ದ ಮೇಲೆ ಮಗ್ದಲದ
ಮರಿಯಳಿಗೆ ಮೊದಲು ಕಾಣಿಸಿಕೊಂಡನು. ಆಕೆಗೆ ಏಳು ದೆವ್ವಗಳನ್ನು ಬಿಡಿಸಿದ್ದನು. [೧೦] ಆಕೆ
ಹೋಗಿ ಆತನು ಕಾಣಿಸಿಕೊಂಡದ್ದನ್ನು ಮುಂಚೆ ಅತನ ಜೊತೆಯಲ್ಲಿದ್ದವರಿಗೆ ತಿಳಿಸಿದಳು.ಇವರು
ಹಂಬಲಿಸುತ್ತಾ ಅಳುತ್ತಾ ಕೂತಿದ್ದರು. [೧೧] ಆತನು ಬದುಕಿದ್ದಾನೆ ನನಗೆ ಕಾಣಿಸಿಕೊಂಡನು ಎಂಬ
ಮಾತನ್ನು ಕೇಳಿದಾಗ ಅವರು ನಂಬಲಿಲ್ಲ.
[೧೨] ಇದಾದ ಮೇಲೆ ಶಿಷ್ಯರಲ್ಲಿ ಇಬ್ಬರು ಹಳ್ಳಿಗೆ ನಡಕೊಂಡು ಹೋಗುತ್ತಿದ್ದಾಗ ಆತನು ಅವರಿಗೆ
ರೂಪಾಂತರದಿಂದ ಕಾಣಿಸಿಕೊಂಡನು. [೧೩] ಅವರು ಹೋಗಿ ಉಳಿದವರಿಗೆ ತಿಳಿಸಿದರು. ಆದರೆ
ಅವರನ್ನೂ ನಂಬಲಿಲ್ಲ.

೧೪ ತರುವಾಯ ಹನ್ನೊಂದು ಮಂದಿ ಶಿಷ್ಯರು ಊಟಕಕೆ ಕೂತಿದ್ದಾಗ ಆತನು ಅವರಿಗೆ
ಕಾಣಿಸಿಕೊಂಡನು. ತಾನು ಜೀವಿತನಾಗಿ ಎದ್ದು ಬಂದ ಮೇಲೆ ತನ್ನನ್ನು ಕಂಡವರ ಮಾತನ್ನು ಅವರು
ನಂಬಲಿಲ್ಲವಾದ ಕಾರಣ ಆತನು ಅವರ ಅಪನಂಬಿಕೆಗೂ ಅವರ ಮನಸ್ಸಿನ ಕಾಠೀಣ್ಯಕ್ಕೂ ಅವರನ್ನು
ಗಧರಿಸಿದನು. ೧೫ ಆ ಮೇಲೆ ಅವರಿಗೆ ನೀವು ಲೋಕದ ಎಲ್ಲಾ ಕಡೆಗೆ ಹೋಗಿ ಜಗತ್ತಿಗೆಲ್ಲಾ
ಸುವಾರ್ತೆಯನ್ನು ಸಾರಿರಿ. ೧೬ ನಂಬಿ ದೀಕ್ಷಾಸ್ನಾನಮಾಡಿಸಿಕೊಳ್ಳುವವನು ರಕ್ಷಣೆ ಹೊಂದುವನು.
ನಂಬದೇ ಹೋಗುವವನು ದಂಡನೆಗೆ ಗುರಿಯಾಗುವನು. ೧೭ ಇದಲ್ಲದೆ ನಂಬುವವರಿಂದ ಈ
ಸೂಚಕಕಾರ್ಯಗಳು ಉಂಟಾಗುವವು. ನನ್ನ ಹೆಸರನ್ನು ಹೇಳಿ ದೆವ್ವಗಳನ್ನು ಬಿಡಿಸುವರು.
ಹೊಸ ಬಾಷೆಗಳನ್ನು ಮಾತಾಡುವರು. ೧೮ ಹಾವುಗಳನ್ನು ಎತ್ತುವರು. ವಿಷಪದಾರ್ಥಗಳನ್ನೇನಾದರೂ
ಕುಡಿದರೂ ಅವರಿಗೆ ಯಾವ ಕೇಡೂ ಆಗುವದಿಲ್ಲ. ಅವರು ರೋಗಿಗಳ ಮೇಲೆ ಕೈಯಿಟ್ಟರೆ
ಇವರಿಗೆ ಗುಣವಾಗುವದು ಎಂದು ಹೇಳಿದನು.
೧೯ ಯೇಸು ಸ್ವಾಮಿಯು ಅವರ ಕೂಡ ಮಾತಾಡಿ ಮೇಲೆ ಆಕಾಶಕ್ಕೆ ಒಯ್ಯಲ್ಪಟ್ಟು
ದೇವರ ಬಲಗಡೆಯಲ್ಲಿ ಆಸನಾರೂಡನಾದನು. ೨೦ ಇತ್ತಲಾಗಿ ಅವರು ಹೊರಟುಹೋಗಿ
ಎಲ್ಲೆಲ್ಲಿಯೂ ಸುವಾರ್ತೆಯನ್ನು ಸಾರಿದರು. ಮತ್ತು ಕರ್ತನು ಅವರ ಕೂಡ ಕೆಲಸ ಮಾಡುತ್ತಾ ,
ಸೂಚಕಕಾರ್ಯಗಳಿಂದ ಸುವಾರ್ತೆಯ ವಾಕ್ಯವನ್ನು ಬಲಪಡಿಸುತ್ತಾ ಇದ್ದನು.

# ಲೂಕನು ಬರೆದ ಸುವಾರ್ತೆ

## ಪೀಟಿಕೆ

೧ ೧-೨ ಶ್ರೀಮತ್ ಥೆಯೊಫಿಲನೇ, ನಮ್ಮಲ್ಲಿ ನಿಶ್ಚಯಕ್ಕೆ ಬಂದಿರುವ ಕಾರ್ಯಗಳನ್ನು
ಮೊದಲಿಂದ ಕಣ್ಣಾರೆ ಕಂಡು ಸುವಾರ್ತಾವಾಕ್ಯವನ್ನು ಸಾರುತ್ತಿದ್ದವರು ನಮಗೆ ತಿಳಿಸಿದ
ಪ್ರಕಾರ ಆ ಕಾರ್ಯಗಳನ್ನು ಚರಿತ್ರರೂಪವಾಗಿ ಬರೆಯುವದಕ್ಕೆ ಅನೇಕರು ಪ್ರಯತ್ನಿಸಿರಲಾಗಿ
೩ ನಾನು ಬುಡದಿಂದ ಎಲ್ಲವನ್ನೂ ಚೆನ್ನಾಗಿ ವಿಚಾರಿಸಿದವನಾದಕಾರಣ ಅವುಗಳನ್ನು ನಿನಗೆ
ಕ್ರಮವಾಗಿ ಬರೆಯುವದು ಒಳ್ಳೇದೆಂದು ನನಗೂ ತೋಚಿತು. ೪ ನಿನಗೆ ಉಪದೇಶಿಸಿರುವ
ವಿಷಯಗಳು ಯಥಾರ್ಥವಾದವುಗಳೆಂದು ಇದರಿಂದ ನೀನು ಗೊತ್ತುಮಾಡಿ ಕೊಳ್ಳಬಹುದು.

## ದೇವದೂತನು ಸ್ನಾನಿಕನಾದ ಯೋಹಾನನ ಜನನವನ್ನು ಮುಂತಿಳಿಸಿದ್ದು

೫ ಯೂದಾಯದ ಅರಸನಾದ ಯೆರೋದನ ಕಾಲದಲ್ಲಿ ಅಬೀಯನ ವರ್ಗಕ್ಕೆ ಸೇರಿದ
ಜಕರೀಯನೆಂಬ ಒಬ್ಬ ಯಾಜಕನಿದ್ದನು. ಅವನ ಹೆಂಡತಿಯು ಆರೋನ ವಂತವಳು. ಆಕೆಯ
ಹೆಸರು ಎಲಿಸಬೇತ್. ೬ ಅವರಿಬ್ಬರೂ ಕರ್ತನ ಎಲ್ಲಾ ಆಜ್ಞೆಗಳನ್ನೂ ನೇಮ ನಿಷ್ಠೆಗಳನ್ನೂ
ಕೈಕೊಂಡು ತಪ್ಪಿಲ್ಲದೆ ನಡಕೊಳ್ಳುತ್ತಾ ದೇವರ ದೃಷ್ಟಿಯಲ್ಲಿ ನೀತಿವಂತರಾಗಿದ್ದರು. ೭ ಆಪರೆ
ಎಲಿಸಬೇತಳು ಬಂಜೆಯಾದದರಿಂದ ಅವರಿಗೆ ಮಕ್ಕಳಿರಲಿಲ್ಲ; ಇದಲ್ಲದೆ ಅವರಿಬ್ಬರೂ
ದಿನಹೋದವರಾಗಿದ್ದರು.

೮ ಹೀಗಿರಲಾಗಿ ಜಕರೀಯನ ವರ್ಗದ ಸರತಿ ಬಂದಾಗ ಅವನು ದೇವರ ಸನ್ನಿಧಿಯಲ್ಲಿ
ಯಾಜಕಧರ್ಮವನ್ನು ನಡಿಸುತ್ತಿರಲು ೯ ದೇವಾಲಯದೊಳಕ್ಕೆ ಹೋಗಿ ಧೂಪವನ್ನರ್ಪಿಸುವದು
ಯಾಜಕರ ಮರ್ಯಾದೆಯ ಪ್ರಕಾರ ಅವನ ಪಾಲಿಗೆ ಬಂತು. ೧೦ ಧೂಪವನ್ನು ಅರ್ಸಪಿಸುವ
ಹೊತ್ತಿನಲ್ಲಿ ಜನರ ಗುಂಪೆಲ್ಲಾ ಹೊರಗೆ ನಿಂತು ದೇವರನ್ನು ಪ್ರಾರ್ಥಿಸುತ್ತಿರಲಾಗಿ ೧೧ ಕರ್ತನ
ದೂತನು ಧೂಪಪೀಠದ ಬಲಗಡೆಯಲ್ಲಿ ನಿಂತುಕೊಂಡವನಾಗಿ ಅವನಿಗೆ ಕಾಣಿಸಿಕೊಂಡನು.
೧೨ ಜಕರೀಯನು ಅವನನ್ನು ಕಂಡು ತತ್ತರಗೊಂಡು ಭಯಹಿಡುದವನಾದನು. ೧೩ ಆದರೆ
ಆ ದೂತನು ಅವನಿಗೆ — ಜಕರೀಯಾ, ಭಯಪಡಬೇಡ; ನಿನ್ನ ವಿಜ್ಞಾಪನೆ ದೇವರಿಗೆ
ಮುಟ್ಟಿತು; ನಿನ್ನ ಹೆಂಡತಿಯಾದ ಎಲಿಸಬೇತಳು ನಿನಗೆ ಒಬ್ಬ ಮಗನನ್ನು ಹೆರುವಳು.
೧೪ ನೀನು ಅವನಿಗೆ ಯೋಹಾನನೆಂದು ಹೆಸರಿಡಬೇಕು. ನಿನಗೆ ಸಂತೋಷವೂ ಉಲ್ಲಾಸವೂ
ಉಂಟಾಗುವದು; ಮತ್ತು ಅವನು ಹುಟ್ಟಿದ್ದಕ್ಕೆ ಬಹುಜನರು ಸಂತೋಷಪಡುವರು. ೧೫ ಅವನು
ಕರ್ತನ ದೃಷ್ಟಿಯಲ್ಲಿ ಮಹಾಪುರುಷನಾಗಿರುವನು; ದ್ರಾಕ್ಷಾರಸವನ್ನಾಗಲಿ ಯಾವ ಮದ್ಯವನ್ನಾಗಲಿ
ಕುಡಿಯದವನಾಗಿರುವನು; ಅವನು ಹುಟ್ಟಿದಂದಿನಿಂದಲೂ ಪವಿತ್ರಾತ್ಮ ಭರಿತನಾಗಿರುವನು.
೧೬ ಇಸ್ರಾಯೇಲ್ಯರಲ್ಲಿ ಅನೇಕರನ್ನು ಅವರ ದೇವರಾಗಿರುವ ಕರ್ತನ ಕಡೆಗೆ ತಿರುಗಿಸುವನು.
ಅವನು ಆತನ ಮುಂದೆ ಹೋಗಿ ಎಲೀಯನ ಗುಣಶಕ್ತಿಗಳಿಂದ ಕೂಡಿದವನಾಗಿ ೧೭ ತಂದೆಗಳ
ಹೃದಯವನ್ನು ಮಕ್ಕಳ ಕಡೆಗೂ ಹಟಹಿಡಿದವರನ್ನು ನೀತಿವಂತರ ಜ್ಞಾನದ ಕಡೆಗೂ ಇರುಗಿಸಿ
ಸಿದ್ಧವಾದ ಜನವನ್ನು ಕರ್ತನಿಗೆ ಒದಗಿಸುವನು ಎಂದು ಹೇಳಿದನು. ೧೮ ಜಕರೀಯನು ಆ
ದೂತನಿಗೆ — ಇದನ್ನು ನಾನು ಯಾತರಿಂದ ತಿಳುಕೊಳ್ಳಲಿ? ನಾನು ಮುದುಕನು; ನನ್ನ ಹೆಂಡತಿಯೂ
ದಿನಹೋದವಳು ಎಂದು ಹೇಳಿದ್ದಕ್ಕೆ ೧೯ ಆ ದೂತನು — ನಾನು ದೇವರ ಸನ್ನಿಧಿಯಲ್ಲಿ ನಿಲ್ಲುವ
ಗಬ್ರಿಯೇಲನು; ನಿನ್ನ ಕೂಡ ಮಾತಾಡಿ ಈ ಶುಭವರ್ತಮಾನವನ್ನು ನಿಗೆ ತಿಳಿಸುವದಕ್ಕಾಗಿ ನಾನು
ಕಳುಹಿಸಲ್ಪಟ್ಟಿದ್ದೇನೆ. ೨೦ ಈ ನನ್ನ ಮಾತು ತಕ್ಕ ಸಮಯದಲ್ಲಿ ನೆರವೇರುವದು; ಆದರೆ ನೀನು
ಅದನ್ನು ನಂಬದೆಹೋದದ್ದರಿಂದ ಅದೆಲ್ಲಾ ಸಂಭವಿಸುವ ದಿನದ ವರೆಗೂ ಮಾತನಾಡಲಾರದೆ
ಮೂಕನಾಗಿರುವಿ ಎಂದು ಅವನಿಗೆ ಉತ್ತರಕೊಟ್ಟನು. ೨೧ ಇಷ್ಟರೊಳಗೆ ಜನರು ಜಕರೀಯನನ್ನು
ಕಾದುಕೊಂಡಿದ್ದು ಅವನು ದೇವಾಲಯದೊಳಗೆ ತಡಮಾಡಿದ್ದಕ್ಕೆ ಆಶ್ಚರ್ಯಪಟ್ಟರು. ೨೨ ಅವನು
ಹೊರಗೆ ಬಂದಾಗ ಅವರ ಕೂಡ ಏನೂ ಮಾತಾಡಲಾರದೆ ಇರಲು ಅವರು — ಇವನಿಗೆ
ದೇವಾಲಯದಲ್ಲಿ ಏನೋ ದಿವ್ಯ ದರ್ಶನವಾಗಿರಬೇಕು ಎಂದು ತಿಳುಕೊಂಡರು. ಅವನು ಅವರಿಗೆ
ಕೈಸನ್ನೆ ಮಾಡುತ್ತಾ ಮೂಕನಾಗಿಯೇ ಇದ್ದನು. ೨೩ ಅವನ ಯಾಜಕವರ್ಗದ ದಿನಗಳು ತೀರಿದನಂತರ
ಅವನು ತನ್ನ ಮನೆಗೆ ಹೋದನು.

೨೪ ಆ ದಿವಸಗಳಾದ ಮೇಲೆ ಅವನ ಹೆಂಡತಿಯಾದ ಎಲಿಸಬೇತಳು ಬಸುರಾಗಿ ಐದು ತಿಂಗಳು
ಮನೆಯಲ್ಲೇ ಮರೆಯಾಗಿದ್ದು — ೨೫ ಕರ್ತನು ಈ ಕಾಲದಲ್ಲಿ ನನ್ನನ್ನು ಪರಾಮರಿಸಿ ನನಗೆ ಈ
ರೀತಿಯಾಗಿ ಮಾಡಿ ಜನರಲ್ಲಿ ನನಗಿದ್ದ ಅವಮಾನವನ್ನು ಪರಿಹರಿಸಿದ್ದಾನಲ್ಲಾ ಅನ್ನುತ್ತಿದ್ದಳು.

### ದೇವದೂತನು ಯೇಸುವಿನ ಜನನವನ್ನು ಮುಂತಿಳಿಸಿದ್ದು

೨೬ ಆರನೆಯ ತಿಂಗಳಲ್ಲಿ ದೇವರು ಗಬ್ರಿಯೇಲನೆಂಬ ತನ್ನ ದೂತನನ್ನು ಗಲಿಲಾಯ
ಸೀಮೆಯ ನಜರೇತೆಂಬ ಊರಿಗೆ ಒಬ್ಬ ಕನ್ಯೆಯ ಬಳಿಗೆ ಕಳುಹಿಸಿದನು; ೨೭ ಆ ಕನ್ಯೆಯ
ಹೆಸರು ಮರಿಯಳು; ಆಕೆಯು ದಾವೀದನ ಮನೆತನದ ಯೋಸೇಫನೆಂಬ ಪುರುಷನಿಗೆ
ನಿಶ್ಚಿತಾರ್ಥವಾಗಿದ್ದಳು. ೨೮ ಆ ದೂತನು ಆಕೆಯ ಬಳಿಗೆ ಬಂದು — ದೇವರ ದಯೆ
ಹೊಂದಿದವಳೇ, ನಿನಗೆ ಶುಭವಾಗಲಿ; ಕರ್ತನು ನಿನ್ನ ಸಂಗಡ ಇದ್ದಾನೆ ಅಂದನು. ೨೯ ಆಕೆಯು ಆ
ಮಾತಿಗೆ ತತ್ತರಿಸಿ — ಇದೆಂಥ ಆಶೀರ್ವಾದ ಎಂದು ಯೋಚನೆಮಾಡುತ್ತಿರಲಾಗಿ ೩೦ ಆ ದೂತನು
ಆಕೆಗೆ — ಮರಿಯಳೇ, ಹೆದರಬೇಡ; ನಿನಗೆ ದೇವರ ದಯೆ ದೊರಕಿತು. ೩೧ ಇಗೋ, ನೀನು
ಗರ್ಭಿಣಿಯಾಗಿ ಒಬ್ಬ ಮಗನನ್ನು ಹೆರುವಿ; ಆತನಿಗೆ ಯೇಸುವೆಂದು ಹೆಸರಿಡಬೇಕು ೩೨ ಆತನು
ಮಹಾಪುರುಷನಾಗಿ ಪರಾತ್ಪರನ ಕುಮಾರನೆನಿಸಿಕೊಳ್ಳುವನು; ಇದಲ್ಲದೆ ದೇವರಾಗಿರುವ
ಕರ್ತನು ಆತನ ಮೂಲಪಿತನಾದ ದಾವೀದನ ಸಿಂಹಾಸನವನ್ನು ಆತನಿಗೆ ಕೊಡುವನು. ೩೩ ಆತನು
ಯಾಕೋಬನ ವಂಶವನ್ನು ಸದಾಕಾಲ ಆಳುವನು; ಆತನ ರಾಜ್ಯಕ್ಕೆ ಅಂತ್ಯವೇ ಇಲ್ಲ ಎಂದು
ಹೇಳಿದನು. ೩೪ ಮರಿಯಳು ಆ ದೂತನನ್ನು — ಇದು ಹೇಗಾದೀತು? ನಾನು ಪುರುಷನನ್ನು
ಅರಿತವಳಲ್ಲವಲ್ಲಾ ಎಂದು ಕೇಳಿದ್ದಕ್ಕೆ ದೂತನು — ೩೫ ನಿನ್ನ ಮೇಲೆ ಪವಿತ್ರಾತ್ಮ ಬರುವದು;
ಪರಾತ್ಪರನ ಶಕ್ತಿಯ ನೆರಳು ನಿನ್ನ ಮೇಲೆ ಬೀಳುವದು; ಆದದರಿಂದ ಹುಟ್ಟುವ ಆ ಪವಿತ್ರ ಶಿಶು
ದೇವರ ಮಗನೆನಿಸಿಕೊಳ್ಳುವದು. ೩೬ ಮತ್ತು ನಿನ್ನ ಬಂಧುವಾದ ಎಲಿಸಬೇತಳಿದ್ದಾಳಲ್ಲಾ,
ಆಕೆ ಸಹ ಮುಪ್ಪಿನವಳಾದರೂ ಗರ್ಭಿಣಿಯಾಗಿದ್ದಾಳೆ; ಆಕೆಯ ಗರ್ಭದಲ್ಲಿ ಗಂಡುಮಗುವದೆ;
ಬಂಜೆಯೆನಿಸಿಕೊಂಡಿದ್ದ ಆಕೆಗೆ ಇದೇ ಆರನೆಯ ತಿಂಗಳು. ೩೭ ದೇವರಿಂದ ಬರುವ ಯಾವ
ಮಾತಾದರೂ ನಿಷ್ಫಲವಾಗುವದಿಲ್ಲ ಅಂದನು. ೩೮ ಆಗ ಮರಿಯಳು — ಇಗೋ, ನಾನು ಕರ್ತನ
ದಾಸಿ; ನಿನ್ನ ಮಾತಿನಂತೆ ನನಗಾಗಲಿ ಅಂದಳು. ಆ ಮೇಲೆ ಆ ದೂತನು ಆಕೆಯ ಬಳಿಯಿಂದ
ಹೊರಟುಹೋದನು.

### ಯೇಸುವಿನ ತಾಯಿಯಾದ ಮರಿಯಳು ಯೋಹಾನನ ತಾಯಿಗೆ ಭೇಟಿಕೊಟ್ಟದ್ದು, ಮತ್ತು ದೇವರನ್ನು ಕೊಂಡಾಡಿದ್ದು

೩೯ ಆ ಕಾಲದಲ್ಲಿ ಮರಿಯಳು ಎದ್ದು ಅವಸರದಿಂದ ಮಲೆನಾಡಿಗೆ ಹೊರಟು ಯೆಹೂದದಲ್ಲಿರುವ
ಒಂದೂರಿಗೆ ಹೋಗಿ ೪೦ ಜಕರೀಯನ ಮನೆಯನ್ನು ಸೇರಿ ಎಲಿಸಬೇತಳಿಗೆ ವಂತಿಸಿದಳು.
೪೧ ಎಲಿಸಬೇತಳು ಮರಿಯಳ ವಂದನೆಯನ್ನು ಕೇಳುತ್ತಲೇ ಆಕೆಯ ಗರ್ಭದಲ್ಲಿದ್ದ ಕೂಸು
ಹಾರಾಡಿತು. ೪೨ ಮತ್ತು ಎಲಿಸಬೇತಳು ಪವಿತ್ರಾತ್ಮಭರಿತಳಾಗಿ ಮಹಾಧ್ವನಿಯಿಂದ ಕೂಗಿ—
ನೀನು ಸ್ತ್ರೀಯರೊಳಗೆ ಆಶೀರ್ವಾದ ಹೊಂದಿದವಳು, ಮತ್ತು ನಿನ್ನಲ್ಲಿ ಹುಟ್ಟುವ ಕೂಸು
ಆಶೀರ್ವಾದಹೊಂದಿದ್ದು. ೪೩ ನನ್ನ ಸ್ವಾಮಿಯ ತಾಯಿಯು ನನ್ನ ಬಳಿಗೆ ಬರುವಷ್ಟು ಭಾಗ್ಯ
ನನಗೆ ಎಲ್ಲಿಂದಾಯಿತು? ೪೪ ಇಗೋ, ನಿನ್ನ ವಂದನೆಯು ನನ್ನ ಕಿವಿಗೆ ಬೀಳುತ್ತಲೇ ಕೂಸು ನನ್ನ
ಗರ್ಭದಲ್ಲಿ ಉಲ್ಲಾಸದಿಂದ ಹಾರಾಡಿತು. ನಂಬಿದವಳಾದ ನೀನು ಧನ್ಯಳೇ; ೪೫ ಕರ್ತನು ನಿನಗೆ
ಹೇಳಿದ ಮಾತುಗಳು ನೆರವೇರುವವು ಅಂದಳು. ೪೬ ಆಗ ಮರಿಯಳು ಹೇಳಿದ್ದೇನಂದರೆ—
ನನ್ನ ಪ್ರಾಣವು ಕರ್ತನನ್ನು ಕೊಂಡಾಡುತ್ತದೆ,
೪೭ ನನ್ನ ಆತ್ಮವು ನನ್ನ ರಕ್ಷಕನಾದ ದೇವರ ವಿಷಯದಲ್ಲಿ ಉಲ್ಲಾಸಗೊಂಡದೆ.
೪೮ ಆತನು ತನ್ನ ದಾಸಿಯ ದೀನಸ್ಥಿತಿಯ ಮೇಲೆ ಲಕ್ಷ್ಯವಿಟ್ಟಿದ್ದಾನೆ.
ಇಗೋ, ಇಂದಿನಿಂದ ತಲತಲಾಂತರದವರೆಲ್ಲಾ ನನ್ನನ್ನು ಧನ್ಯಳೆಂದು ಹೊಗಳುವರು.
೪೯ ಶಕ್ತನಾಗಿರುವಾತನು ನನಗೆ ದೊಡ್ಡ ಉಪಕಾರಗಳನ್ನು ಮಾಡಿದ್ದಾನೆ; ಆತನ ನಾಮವು ಪರಿಶುದ್ಧವಾದದ್ದು.
೫೦ ಆತನಲ್ಲಿ ಭಯಭಕ್ತಿಯುಳ್ಳವರ ಮೇಲೆ ಆತನ ದಯವು ತಲತಲಾಂತರದ ವರೆಗೂ ಇರುವದು.
೫೧ ಆತನು ತನ್ನ ಭುಜಪರಾಕ್ರಮವನ್ನು ತೋರಿಸಿ ಸೊಕ್ಕಿದ ಮನಸ್ಸುಳ್ಳವರನ್ನು ಚದರಿಸಿಬಿಟ್ಟಿದ್ದಾನೆ.
೫೨ ಪ್ರಭುಗಳನ್ನು ಸಿಂಹಾಸನಗಳಿಂದ ದೊಬ್ಬಿ ದೀನಸ್ಥಿತಿಯವರನ್ನು ಉನ್ನತಸ್ಥಿತಿಗೆ ತಂದಿದ್ದಾನೆ.

೫೩ ಹಸಿದವರನ್ನು ಮೃಷ್ಟಾನ್ನದಿಂದ ತೃಪ್ತಿಪಡಿಸಿ ಸ್ಥಿತಿವಂತರನ್ನು ಬರಿಗೈಯಲ್ಲಿ
ಕಳುಹಿಸಿಬಿಟ್ಟಿದ್ದಾನೆ.
೫೪-೫೫ ಆತನು ನಮ್ಮ ಪೂರ್ವಿಕರಿಗೆ ಹೇಳಿದ್ದಕ್ಕೆ ಸರಿಯಾಗಿ
ಅಬ್ರಹಾಮನಿಗೂ ಅವನ ವಂಶದವರಿಗೂ ಯಾವಾಗಲೂ ದಯೆ ತೋರಿಸಬೇಕೆಂಬದನ್ನು
ನೆನಸಿಕೊಂಡು

### ತನ್ನ ಸೇವಕನಾದ ಇಸ್ರಾಯೇಲನನ್ನು ಕೈಹಿಡಿದಿದ್ದಾನೆ

೫೬ ಅಂದಳು. ಮರಿಯಳು ಹೆಚ್ಚು ಕಡಿಮೆ ಮೂರು ತಿಂಗಳು ಎಲಿಸಬೇತಳ ಬಳಿಯಲ್ಲಿದ್ದು ತನ್ನ
ಮನೆಗೆ ಹಿಂತಿರುಗಿ ಹೋದಳು.

ಸ್ನಾನಿಕನಾದ ಯೋಹಾನನ ಜನನವೂ ನಾಮಕರಣವೂ. ಅವನ ತಂದೆಯು ದೇವರನ್ನು
ಕೊಂಡಾಡಿದ್ದು

೫೭ ಎಲಿಸಬೇತಳು ದಿನತುಂಬಿ ಗಂಡುಮಗುವನ್ನು ಹೆತ್ತಳು. ೫೮ ಆಕೆಯ ನೆರೆಹೊರೆಯವರೂ
ಬಂಧುಬಾಂಧವರೂ ಆಕೆಯ ಮೇಲೆ ಕರ್ತನು ತನ್ನ ದಯವನ್ನು ವಿಶೇಷವಾಗಿ
ತೋರಿಸಿದ್ದಾನೆಂಬದನ್ನು ಕೇಳಿ ಆಕೆಯ ಕೂಡ ಸಂತೋಷಪಟ್ಟರು. ೫೯ ಎಂಟನೆಯ ದಿನದಲ್ಲಿ
ಅವರು ಆ ಮಗುವಿಗೆ ಸುನ್ನತಿಮಾಡುವದಕ್ಕಾಗಿ ಬಂದು ಅದಕ್ಕೆ ಜಕರೀಯನೆಂದು ತಂದೆಯ
ಹೆಸರನ್ನು ಇಡಬೇಕೆಂದಿದ್ದರು. ೬೦ ಈ ವಿಷಯದಲ್ಲಿ ಅದರ ತಾಯಿಯು — ಅದು ಬೇಡ,
ಯೋಹಾನನೆಂದು ಹೆಸರಿಡಬೇಕು ಅನ್ನಲು ೬೧ ಅವರು— ನಿನ್ನ ಬಂಧುಬಾಂಧವರಲ್ಲಿ
ಈ ಹೆಸರಿನವರು ಒಬ್ಬರಾದರೂ ಇಲ್ಲವಲ್ಲಾ ಎಂದು ಆಕೆಗೆ ಹೇಳಿ ೬೨ ಇದಕ್ಕೆ ಏನು
ಹೆಸರಿಡಬೇಕೆಂದಿರುತ್ತೀ ಎಂಬದಾಗಿ ತಂದೆಗೆ ಸನ್ನೆಮಾಡಿದರು. ೬೩ ಅವನು ಒಂದು
ಹಲಿಗೆಯನ್ನು ತರಿಸಿಕೊಂಡು — ಯೋಹಾನನೆಂತಲೇ ಅದರ ಹೆಸರು ಎಂದು ಬರೆದನು. ಅಕ್ಕೆ
ಎಲ್ಲರೂ ಆಶ್ಚರ್ಯಪಟ್ಟರು. ೬೪ ಕೂಡಲೆ ಅವನಿಗೆ ಬಾಯಿ ಬಂತು, ನಾಲಿಗೆ ಸಡಲವಾಯಿತು,
ಅವನು ಮಾತಾಡುವ ಶಕ್ತಿಯುಳ್ಳವನಾಗಿ ದೇವರನ್ನು ಕೊಂಡಾಡಿದನು. ೬೫ ಇದನ್ನು ಕೇಳಿದ
ನೆರೆಹೊರೆಯವರಿಗೆಲ್ಲಾ ಹೆದರಿಕೆಯುಂಟಾಯಿತು; ಮತ್ತು ಈ ಎಲ್ಲಾ ಸಂಗತಿಗಳನ್ನು ಕುರಿತು
ಯೂದಾಯದ ಮಲೆನಾಡಿನಲ್ಲೆಲ್ಲಾ ಮಾತಾಡಿಕೊಳ್ಳುತ್ತಿದ್ದರು. ೬೬ ಕೇಳಿದವರೆಲ್ಲರೂ — ಆಹಾ,
ಈ ಕೂಸು ಎಂಥವನಾಗುವನೋ ಎಂದು ಈ ಸಂಗತಿಗಳನ್ನು ಮನಸ್ಸಿನಲ್ಲಿಟ್ಟುಕೊಂಡರು. ಮತ್ತು
ಕರ್ತನ ಹಸ್ತವು ಅದರ ಮೇಲೆ ಇತ್ತು.

೬೭ ಇದಲ್ಲದೆ ಆ ಮಗುವಿನ ತಂದೆಯಾದ ಜಕರೀಯನು ಪವಿತ್ರಾತ್ಮಭರಿತನಾಗಿ
ಪ್ರವಾದನವಚನವನ್ನು ನುಡಿದದ್ದೇನಂದರೆ—
೬೮-೭೦ ಇಸ್ರಾಯೇಲ್ ಜನರ ದೇವರಾಗಿರುವ ಕರ್ತನಿಗೆ ಸ್ತೋತ್ರವು;
ಆತನು ಪೂರ್ವದಲ್ಲಿದ್ದ ತನ್ನ ಶ್ರೀಪ್ರವಾದಿಗಳ ಬಾಯಿಂದ ತಾನು ಹೇಳಿದಂತೆಯೇ
ತನ್ನ ಪ್ರಜೆಯನ್ನು ಪರಾಮರಿಸಿ ಅವರಿಗೆ ಬಿಡುಗಡೆಯನ್ನುಂಟುಮಾಡಿದ್ದಾನೆ;
ತನ್ನ ಸೇವಕನಾದ ದಾವೀದನ ಮನೆತನದಲ್ಲಿ ನಮಗೋಸ್ಕರ ಒಬ್ಬ ರಕ್ಷಣವೀರನನ್ನು ಎಬ್ಬಿಸಿದ್ದಾನೆ.
೭೧-೭೩ ಆತನು ನಮ್ಮ ಪಿತೃಗಳಿಗೆ ದಯೆಯನ್ನು ತೋರಿಸುವವನಾಗಿಯೂ
ನಮ್ಮ ಮೂಲಪಿತೃವಾದ ಅಬ್ರಹಾಮನಿಗೆ ಪ್ರಮಾಣಮಾಡಿ ಕೊಟ್ಟ ತನ್ನ ಪರಿಶುದ್ಧವಾದ
ಒಡಂಬಡಿಕೆಯನ್ನು ನೆನಸಿಕೊಳ್ಳುವವನಾಗಿಯೂ ಇದ್ದು
ನಮ್ಮ ವೈರಿಗಳಿಂದಲೂ ನಮ್ಮನ್ನು ದ್ವೇಷಿಸುವವರೆಲ್ಲರ ಕೈಯಿಂದಲೂ ನಮ್ಮನ್ನು ತಪ್ಪಿಸಿ
ರಕ್ಷಿಸಿದ್ದಾನೆ.
೭೪-೭೫ ಹೀಗೆ ನಾವು ನಮ್ಮ ವೈರಿಗಳ ಕೈಯಿಂದ ಬಿಡುಗಡೆಹೊಂದಿ ಭಯವಿಲ್ಲದವರಾಗಿದು
ನಮ್ಮ ಜೀವಮಾನದಲ್ಲೆಲ್ಲಾ ನಿರ್ಮಲಚಿತ್ತದಿಂದಲೂ ನೀತಿಯಿಂದಲೂ
ತನ್ನ ಸನ್ನಿಧಿಯಲ್ಲಿ ಸೇವೆಮಾಡುವಂತೆ ನಮಗೆ ಅನುಕೂಲಮಾಡಿದ್ದಾನೆ.
೭೬ ಮಗುವೇ, ನೀನಾದರೋ ಪರಾತ್ಪರನ ಪ್ರವಾದಿಯೆನಿಸಿಕೊಳ್ಳುವಿ.
ನೀನು ಕರ್ತನ ಮುಂದೆ ಹೋಗಿ ಆತನ ಹಾದಿಗಳನ್ನು ಸಿದ್ಧಮಾಡುವವನಾಗಿಯೂ
೭೭-೭೮ ನಮ್ಮ ದೇವರು ಅತ್ಯಂತಕರುಣೆಯಿಂದ ದಯಪಾಲಿಸುವ ಪಾಪಪರಿಹಾರವೆಂಬ ರಕ್ಷಣೆಯ
ತಿಳುವಳಿಕೆಯನ್ನು ಆತನ ಪ್ರಜೆಗೆ ಕೊಡುವವನಾಗಿಯೂ ಇರುವಿ.
ಆ ಕರುಣೆಯಿಂದಲೇ ನಮಗೆ ಮೇಲಿನಿಂದ ಅರುಣೋದಯವು ಉಂಟಾಗಿ
೭೯ ಕತ್ತಲಲ್ಲಿಯೂ ಮರಣಾಂಧಕಾರದಲ್ಲಿಯೂ ವಾಸಿಸಿರುವವರಾದ ನಮಗೆ ಪ್ರಕಾಶಕೊಟ್ಟು

ನಮ್ಮ ಕಾಲುಗಳನ್ನು ಸಮಾಧಾನದ ಮಾರ್ಗದಲ್ಲಿ ಸೇರಿಸಿ ನಡಿಸುವದು
೮೦ ಅಂದನು. ಆ ಬಾಲಕನು ಬೆಳೆದು ಆತ್ಮದಲ್ಲಿ ಬಲವುಳ್ಳವನಾದನು. ಮತ್ತು ಇಸ್ರಾಯೇಲ್ ಜನರಿಗೆ
ತನ್ನನ್ನು ತೋರ್ಪಡಿಸಿಕೊಳ್ಳುವ ದಿನದ ವರೆಗೆ ಅರಣ್ಯ ಪ್ರದೇಶಗಳಲ್ಲಿ ಇದ್ದನು.

ಯೇಸು ಕ್ರಿಸ್ತನ ಜೀವನವು; ದೇವದೂತರು ಅದನ್ನು ಕುರುಬರಿಗೆ ತಿಳಿಸಿದ್ದು.

೨ ೧ ಆ ಕಾಲದಲ್ಲಿ ರಾಜ್ಯವೆಲ್ಲಾ ಖಾನೆಷುಮಾರಿ ಬರಸಿಕೊಳ್ಳಬೇಕೆಂಬ ಆಜ್ಞೆಯು
ಚಕ್ರವರ್ತಿಯಾದ ಔಗುಸ್ತನಿಂದ ಹೊರಟಿತು. ೨ ಕುರೇನ್ಯನು ಸುರಿಯಕ್ಕೆ
ಅಧಿಪತಿಯಾಗಿದ್ದಾಗ ಈ ಮೊದಲನೆಯ ಖಾನೆಷುಮಾರಿ ನಡೆಯಿತು. ೩ ಆಗ
ಎಲ್ಲರೂ ಖಾನೆಷುಮಾರಿ ಬರಸಿಕೊಳ್ಳುವದಕ್ಕಾಗಿ ತಮ್ಮತಮ್ಮ ಊರುಗಳಿಗೆ ಹೊರಟರು.
೪–೫ ಯೋಸೇಫನು ಸಹ ತಾನು ದಾವೀದನ ಮನೆತನದವನೂ ಗೋತ್ರದವನೂ
ಆಗಿದ್ದದರಿಂದ ಹೆಸರುಬರಸಿಕೊಳ್ಳುವದಕ್ಕಾಗಿ ತನಗೆ ನಿಶ್ಚಿತಾರ್ಥವಾಗಿದ್ದ
ಮರಿಯಳ ಸಂಗಡ ಗಲಿಲಾಯಸೀಮೆಯ ನಜರೇತ್ ಎಂಬ ಊರಿನಿಂದ ಹೊರಟು
ಯೂದಾಯದಲ್ಲಿರುವ ಬೇತ್ಲೆಹೇಮೆಂಬ ದಾವೀದನೂರಿಗೆ ಹೋದನು. ೬ ಆಗ ಮರಿಯಳು
ಪೂರ್ಣಗರ್ಭಿಣಿಯಾಗಿದ್ದಳು. ಅವರೂ ಅಲ್ಲಿದ್ದಾಗ ಆಕೆಗೆ ದಿನತುಂಬಿತು. ೭ ಆಕೆಯು ತನ್ನ
ಚೊಚ್ಚಲುಮಗನನ್ನು ಹೆತ್ತು ಬಟ್ಟೆಯಲ್ಲಿ ಸುತ್ತಿ ಚತ್ರದಲ್ಲಿ ಅವರಿಗೆ ಸ್ಥಳವಿಲ್ಲದ ಕಾರಣ ಅವನನ್ನು
ಗೋದಲಿಯಲ್ಲಿ ಮಲಗಿಸಿದಳು.
೮ ಆ ಸೀಮೆಯಲ್ಲಿ ಕುರುಬರು ಹೊಲದಲ್ಲಿದ್ದು ಕೊಂಡು ರಾತ್ರಿಯಲ್ಲಿ ತಮ್ಮ ಕುರೀಹಿಂಡನ್ನು
ಕಾಯುತ್ತಿರಲಾಗಿ ೯ ಕರ್ತನ ದೂತನೊಬ್ಬನು ಬಂದು ಅವರ ಎದುರಿನಲ್ಲಿ ನಿಂತನು. ಕರ್ತನ
ಪ್ರಭೆಯು ಅವರ ಸುತ್ತಲು ಪ್ರಕಾಶಿಸಿತು; ಅವರು ಬಹಳವಾಗಿ ಹೆದರಿದರು. ೧೦ ಆ ದೂತನು
ಅವರಿಗೆ — ಹೆದರಬೇಡಿರಿ, ಕೇಳಿರಿ; ಜನರಿಗೆಲ್ಲಾ ಮಹಾ ಸಂತೋಷವನ್ನುಂಟುಮಾಡುವ
ಶುಭಸಮಾಚಾರವನ್ನು ನಿಮಗೆ ತಿಳಿಸುತ್ತೇನೆ. ೧೧ ಅದೇನಂದರೆ, ಈ ಹೊತ್ತು ನಿಮಗೋಸ್ಕರ
ದಾವೀದನೂರಲ್ಲಿ ಒಬ್ಬ ರಕ್ಷಕನು ಹುಟ್ಟಿದ್ದಾನೆ. ಆತನು ಕರ್ತನಾಗಿರುವ ಕ್ರಿಸ್ತನೇ. ೧೨ ಆತನು
ನಿಮಗೆ ಗೊತ್ತಾಗುವದಕ್ಕೆ ಗುರುತೇನಂದರೆ — ಬಟ್ಟೆಯಿಂದ ಸುತ್ತಿರುವ ಒಂದು ಕೂಸು
ಗೋದಲಿಯಲ್ಲಿ ಮಲಗಿರುವದನ್ನು ಕಾಣುವಿರಿ ಎಂದು ಹೇಳಿದನು. ೧೩ ಫಕ್ಕನೆ ಆ ದೂತನ ಸಂಗಡ
ಪರಲೋಕಸೈನ್ಯದವರ ಒಂದು ದೊಡ್ಡ ಗುಂಪು ಕಾಣಿಸಿ ಕೊಂಡು—
೧೪ ಮೇಲಣಲೋಕಗಳಲ್ಲಿ ದೇವರಿಗೆ ಮಹಿಮೆ, ಭೂಲೋಕದಲ್ಲಿ ಮನುಷ್ಯರೊಳಗೆ ಸಮಾಧಾನ
ದೇವರು ಅವರಿಗೆ ಒಲಿಯುತ್ತಾನೆ
ಎಂದು ದೇವರನ್ನು ಕೊಂಡಾಡುತ್ತಾ ಹೇಳಿದರು.
೧೫ ದೇವದೂತರು ಅವರ ಬಳಿಯಿಂದ ಒರಲೋಕಕ್ಕೆ ಹೊರಟುಹೋದ ಮೇಲೆ ಆ
ಕುರುಬರು — ನಾವು ಈಗಲೇ ಬೇತ್ಲೆಹೇಮಿಗೆ ಹೋಗಿ ಕರ್ತನು ನಮಗೆ ತಿಳಿಯಪಡಿಸಿದ
ಈ ಸಂಗತಿಯನ್ನು ನೋಡೋಣ ನಡೆಯಿರಿ ಎಂದು ತಮ್ಮತಮ್ಮೊಳಗೆ ಮಾತಾಡಿಕೊಂಡು
ತಟ್ಟನೆ ಹೋಗಿ ೧೬ ಮರಿಯಳನ್ನೂ ಯೋಸೇಫನನ್ನೂ ಗೋದಲಿಯಲ್ಲಿ ಮಲಗಿರುವ ಆ
ಕೂಸನ್ನೂ ಕಂಡುಕೊಂಡರು. ೧೭ ಅದನ್ನು ನೋಡಿದಾಗ ಅವರು ಆ ಮಗುವಿನ ವಿಷಯದಲ್ಲಿ
ತಮಗೆ ಹೇಳಿದ್ದ ಮಾತನ್ನು ತಿಳಿಯಪಡಿಸಿದರು. ೧೮ ಅದನ್ನು ಕೇಳಿದವರೆಲ್ಲರೂ ತಮಗೆ
ಕುರುಬರು ಹೇಳಿದ ಮಾತುಗಳಿಗೆ ಆಶ್ಚರ್ಯಪಟ್ಟರು. ೧೯ ಆದರೆ ಮರಿಯಳು ಆ ಮಾತುಗಳನ್ನೆಲ್ಲಾ
ತನ್ನ ಮನಸ್ಸಿನಲ್ಲಿಟ್ಟುಕೊಂಡು ಯೋಚಿಸುತ್ತಿದ್ದಳು. ೨೦ ಕುರುಬರು ತಮಗೆ ದೂತರಿಂದ
ಹೇಳಲ್ಪಟ್ಟಂತೆಯೇ ಎಲ್ಲಾ ಸಂಗತಿಗಳನ್ನು ಕೇಳಿ ನೋಡಿ ಅವುಗಳಿಗೋಸ್ಕರ ದೇವರನ್ನು
ಕೊಂಡಾಡುತ್ತ ಸ್ತುತಿಸುತ್ತಾ ಹಿಂತಿರುಗಿ ಹೋದರು.

ಯೇಸುವಿನ ನಾಮಕರಣವು; ಆತನನ್ನು ದೇವಾಲಯದಲ್ಲಿ ದೇವರಿಗೆ ಸಮರ್ಪಿಸಿದ್ದು.

೨೧ ಆ ಕೂಸಿಗೆ ಸುನ್ನತಿಮಾಡುವದಕ್ಕೆ ಕಳೆಯಬೇಕಾದ ಎಂಟು ದಿವಸಗಳು ತುಂಬಿದ
ಮೇಲೆ ಅದಕ್ಕೆ ಯೇಸುವೆಂದು ಹೆಸರಿಟ್ಟರು. ಅದು ಗರ್ಭದಲ್ಲಿ ಮೂಡುವದಕ್ಕಿಂತ ಮೊದಲು
ದೇವದೂತನು ಅದೇ ಹೆಸರನ್ನು ಸೂಚಿಸಿದ್ದನು.
೨೨ ಬಳಿಕ ಮೋಶೆಯ ನೇಮದ ಪ್ರಕಾರ ಅವರ ಸೂತಕ ಕಳೆಯುವದಕ್ಕೆ ತಕ್ಕಷ್ಟು ದಿವಸಗಳು
ತುಂಬಲು ಅವರು ಆ ಕೂಸನ್ನು ಯೆರೂಸಲೇಮಿಗೆ ತೆಗೆದುಕೊಂಡು ಹೋದರು. ೨೩ ಯಾಕಂದರೆ
ಚೊಚ್ಚಲು ಗಂಡೆಲ್ಲಾ ಕರ್ತನಿಗೆ ಮೀಸಲೆನಿಸಿಕೊಳ್ಳುವದು ಎಂಬದಾಗಿ ಕರ್ತನ ಧರ್ಮಶಾಸ್ತ್ರದಲ್ಲಿ

ಬರೆದಿರುವಂತೆ ಅದನ್ನು ಕರ್ತನಿಗೆ ಸಮರ್ಪಿಸಬೇಕಾಗಿತ್ತು. ೨೪ ಇದಲ್ಲದೆ ಕರ್ತನ ಧರ್ಮಶಾಸ್ತ್ರದಲ್ಲಿ
ಹೇಳಿರುವಂತೆ ಒಂದು ಜೋಡಿ ಬೆಳವವನ್ನಾಗಲಿ ಎರಡು ಪಾರಿವಾಳದ ಮರಿಗಳನ್ನಾಗಲಿ
ಬಲಿಕೊಡಬೇಕಾಗಿತ್ತು. ೨೫ ಆ ಕಾಲದಲ್ಲಿ ಯೆರೂಸಲೇಮಿನಲ್ಲಿ ಸಿಮೆಯೋನನೆಂಬ ಒಬ್ಬ
ಮನುಷ್ಯನಿದ್ದ ನು. ಈ ಮನುಷ್ಯನು ನೀತಿವಂತನೂ ದೇವಭಕ್ತನೂ ಆಗಿದ್ದು ಇಸ್ರಾಯೇಲ್ ಜನರನ್ನು
ಸಂತೈಸುವವನು ಯಾವಾಗ ಬಂದಾನೆಂದು ಹಾರೈಸುತ್ತಿದ್ದನು; ಮತ್ತು ಪವಿತ್ರಾತ್ಮಪ್ರೇರಿತನಾಗಿದ್ದನು.
೨೬ ಇದಲ್ಲದೆ, ಕರ್ತನು ಕಳುಹಿಸಬೇಕಾದ ಕ್ರಿಸ್ತನನ್ನು ಕಾಣುವದಕ್ಕಿಂತ ಮುಂಚೆ ನೀನು
ಸಾಯುವದಿಲ್ಲವೆಂದು ಪವಿತ್ರಾತ್ಮನ ಮೂಲಕ ಅವನಿಗೆ ದೈವೋಕ್ತಿ ಉಂಟಾಗಿತ್ತು. ೨೭ ಇವನು
ಪವಿತ್ರಾತ್ಮನ ಪ್ರೇರಣೆಯಿಂದ ದೇವಾಲಯಕ್ಕೆ ಬಂದನು; ಆಗ ತಂದೆತಾಯಿಗಳು ಯೇಸುವೆಂಬ
ಮಗುವಿಗೆ ಧರ್ಮಶಾಸ್ತ್ರದಲ್ಲಿ ಹೇಳಿರುವ ಪದ್ಧತಿಯ ಪ್ರಕಾರ ನಡಿಸಬೇಕೆಂದು ಅದನ್ನು ಒಳಕ್ಕೆ
ತರಲು ೨೮ ಅವನುಅದನ್ನು ತನ್ನ ಕೈಯಲ್ಲಿ ತಕ್ಕೊಂಡು ದೇವರನ್ನು ಕೊಂಡಾಡಿ—
೨೯ ಒಡೆಯನೇ, ನಿನ್ನ ಮಾತು ನೆರವೇರಿತು;
ಈಗ ಸಮಾಧಾನದಿಂದ ಹೋಗುವದಕ್ಕೆ ನಿನ್ನ ದಾಸನಿಗೆ ಅಪ್ಪಣೆಯಾಯಿತು.
೩೦ ನೀನು ನೇಮಿಸಿರುವ ರಕ್ಷಕನನ್ನು ನಾನು ಕಣ್ಣಾರೆ ಕಂಡೆನು.
೩೧ ಎಲ್ಲಾ ಜನಗಳಗೆ ಪ್ರತ್ಯಕ್ಷನಾಗಲಿ ಎಂದು ಆತನನ್ನು ಒದಗಿಸಿಕೊಟ್ಟಿದ್ದೀ.
೩೨ ಆತನು ಅನ್ಯದೇಶದವರಿಗೆ ಜ್ಞಾನೋದಯದ ಬೆಳಕು,
ನಿನ್ನ ಪ್ರಜೆಯಾದ ಇಸ್ರಾಯೇಲ್ಯರಿಗೆ ಕೀರ್ತಿ,
೩೩ ಅಂದನು. ಆ ಮಗುವಿನ ವಿಷಯವಾಗಿ ಹೇಳಿದ ಈ ಮಾತುಗಳಿಗೆ ಅದರ ತಂದೆತಾಯಿಗಳು
ಆಶ್ಚರ್ಯಪಡುತ್ತಿರಲು ೩೪ ಸಿಮೆಯೋನನು ಅವರನ್ನು ಆಶೀರ್ವದಿಸಿ ತಾಯಿಯಾದ
ಮರಿಯಳಿಗೆ — ಇಗೋ, ಈತನು ಇಸ್ರಾಯೇಲ್ ಜನರಲ್ಲಿ ಅನೇಕರು ಬೀಳುವದಕ್ಕೂ ಅನೇಕರು
ಏಳುವದಕ್ಕೂ ಕಾರಣನಾಗಿರುವನು; ಮತ್ತು ಜನರು ಎದುರುಮಾತಾಡುವದಕ್ಕೆ ಗುರುತಾಗಿರುವನು;
೩೫ ಹೀಗೆ ಬಹುಜನರ ಅಂತರಂಗದ ವಿಚಾರಗಳು ಬೈಲಿಗೆ ಬಂದಾವು; ಇದಕ್ಕೆ ಈತನು ಹುಟ್ಟಿದ್ದು.
ಇದಲ್ಲದೆ ನಿನ್ನ ಪ್ರಾಣಕ್ಕಂತೂ ಅಲಗು ನಾಟಿದಂತಾಗುವದು ಎಂದು ಹೇಳೀದನು.
೩೬ ಇದಲ್ಲದೆ ಅಸೇರನ ಕುಲದ ಫನುವೇಲನ ಮಗಳಾದ ಅನ್ನಳೆಂಬ ಒಬ್ಬ ಪ್ರವಾದಿನಿ ಇದ್ದಳು.
ಆಕೆ ಬಹಳ ಮುಪ್ಪಿನವಳು; ಆಕೆ ತನ್ನ ಕನ್ಯಾವಸ್ಥೆ ಕಳೆದ ತರುವಾಯ ಗಂಡನ ಕೂಡ ಏಳು ವರುಷ
ಬಾಳುವೆ ಮಾಡಿ ೩೭ ಎಂಭತ್ತುನಾಲ್ಕು ವರುಷ ವಿಧವೆಯಾಗಿದ್ದಳು. ಆಕೆ ದೇವಾಲಯವನ್ನು
ಬಿಟ್ಟುಹೋಗದೆ ಉಪವಾಸ ವಿಜ್ಞಾಪನೆಗಳಿಂದ ರಾತ್ರಿ ಹಗಲೂ ದೇವರ ಸೇವೆಯನ್ನು
ಮಾಡುತ್ತಿದ್ದಳು. ೩೮ ಆಕೆ ಅದೇ ಗಳಿಗೆಯಲ್ಲಿ ಹತ್ತರಕ್ಕೆ ಬಂದುದೇವರಿಂದಾದ ಉಪಕಾರವನ್ನು
ನೆನಸಿ ಕೊಂಡಾಡಿದ್ದಲ್ಲದೆ ಯೆರೂಸಲೇಮಿನ ಬಿಡುಗಡೆಯನ್ನು ಹಾರೈಸುತ್ತಿದದವರೆಲ್ಲರ
ಸಂಗಡ ಆತನ ವಿಷಯವಾಗಿ ಮಾತಾಡುವವಳಾದಳು. ೩೯ ಇತ್ತಲಾಗಿ ಅವರು ಕರ್ತನ ಧರ್ಮಶಾಸ್ತ್ರದಲ್ಲಿ
ಹೇಳಿರುವ ಕಾರ್ಯಗಳನ್ನೆಲ್ಲಾ ನೆರವೇರಿಸಿದ ಮೇಲೆ ಗಲಿಲಾಯಕ್ಕೆ ಸೇರಿದ ನಜರೇತೆಂಬ
ತಮ್ಮ ಊರಿಗೆ ಹಿಂತಿರುಗಿ ಹೋದರು.
೪೦ ಆ ಬಾಲಕನು ಬೆಳೆದು ಬಲಗೊಂಡು ಜ್ಞಾನದಿಂದ ತುಂಬಿದವನಾದನು; ಮತ್ತು ಆತನ ಮೇಲೆ
ದೇವರ ದಯವಿತ್ತು. /ಯೇಸು ಹನ್ನೆರಡು ವರುಷದವನಾದಾಗ ಯೆರೂಸಲೇಮಿಗೆ ಹೋಗಿ
ದೇವಾಲಯದಲ್ಲಿ ವಿದ್ವಾಂಸರ ಸಂಗಡ ಸಂಭಾಷಣೆ ಮಾಡಿದ್ದು.
೪೧ ಆತನ ತಂದೆತಾಯಿಗಳು ಪ್ರತಿವರುಷವೂ ಪಸ್ಕ ಹಬ್ಬದ ಜಾತ್ರೆಗೆ ಯೆರೂಸಲೇಮಿಗೆ
ಹೋಗುತ್ತಿದ್ದರು. ೪೨ ಹೀಗಿರಲಾಗಿ ಆತನು ಹನ್ನೆರಡು ವರುಷದವನಾದಾಗ ಅವರು ಹಬ್ಬದ ಪದ್ಧತಿಯ
ಪ್ರಕಾರ ಅಲ್ಲಿಗೆ ಹೋದರು. ೪೩ ಹಬ್ಬದ ದಿವಸಗಳನ್ನು ತೀರಿಸಿಕೊಂಡು ಹಿಂತಿರುಗಿ ಬರುವಾಗ
ಬಾಲಕನಾದ ಯೇಸು ಯೆರೂಸಲೇಮಿನಲ್ಲಿಯೇ ಉಳುಕೊಂಡನು. ಆತನು ತಂದೆತಾಯಿಗಳು
ಅದನ್ನು ತಿಳಿಯದೆ ೪೪ ಆತನು ಯಾತ್ರೆಯವರ ಗುಂಪಿನಲ್ಲಿ ಸೇರಿರುವನು ಎಂದು ಭಾವಿಸಿ
ಒಂದು ದಿನದ ಪ್ರಯಾಣ ನಡೆದು ಬಂಧುಬಾಂಧವರಲ್ಲಿಯೂ ಪರಿಚಿತಿಯವರಲ್ಲಿಯೂ ೪೫ ಆತನನ್ನು
ಹುಡುಕಿ ಕಾಣದೆ ತಿರಿಗಿ ಯೆರೂಸಲೇಮಿಗೆ ಹುಡುಕಿಕೊಂಡು ಹೋದರು. ೪೬ ಮೂರು ದಿನದ
ಮೇಲೆ ಆತನನ್ನು ದೇವಾಲಯದಲ್ಲಿ ಕಂಡರು. ಆತನು ಬೋಧಕರ ನಡುವೆ ಕುಳಿತುಕೊಂಡು
ಅವರ ಉಪದೇಶವನ್ನು ಕೇಳುತ್ತಾ ಪ್ರಶ್ನೆಮಾಡುತ್ತಾ ಇದ್ದನು. ೪೭ ಆತನು ಆಡಿದ ಮಾಡುಗಳನ್ನು
ಕೇಳಿದವರೆಲ್ಲರು ಆತನ ಬುದ್ಧಿಗೂ ಉತ್ತರಗಳಿಗೂ ಆಶ್ಚರ್ಯಪಟ್ಟರು. ೪೮ ತಂದೆತಾಯಿಗಳು
ಆತನನ್ನು ಕಂಡು ಬೆರಗಾದರು; ಮತ್ತು ಆತನ ತಾಯಿಯು — ಕಂದಾ, ನೀನು ನಮಗೆ ಯಾಕೆ ಹೀಗೆ
ಮಾಡಿದಿ? ನಿನ್ನ ತಂದೆಯೂ ನಾನು ಎಷ್ಟೋ ತಳಮಳಗೊಂಡು ನಿನ್ನನ್ನು ಹುಡುಕಿ ಬಂದೆವಲ್ಲಾ

ಎಂದು ಹೇಳಲು [೪೯] ಆತನು ಅವರಿಗೆ— ನೀವು ನನ್ನನ್ನು ಹುಡುಕಿದ್ದೇನು? ನಾನು ನನ್ನ ತಂದೆಯ
ಮನೆಯಲ್ಲಿ ಇರಬೇಕಾದದ್ದು ನಿಮಗೆ ತಿಳಿಯಲಿಲ್ಲವೇ? ಎಂದು ಉತ್ತರಕೊಟ್ಟನು. [೫೦] ಆದರೆ
ಆತನು ಹೇಳಿದ ಮಾತಿನ ಅರ್ಥವನ್ನು ಅವರು ಗ್ರಹಿಸಲಿಲ್ಲ. [೫೧] ಬಳಿಕ ಆತನು ಅವರ ಜೊತೆಯಲ್ಲಿ
ನಜರೇತಿಗೆ ಒಂದು ಅವರಿಗೆ ಅಧೀನನಾಗಿದ್ದನು. ಆತನ ತಾಯಿಯು ಈ ಸಂಗತಿಗಳನ್ನೆಲ್ಲಾ ತನ್ನ
ಮನಸ್ಸಿನಲ್ಲಿ ಇಟ್ಟುಕೊಂಡಳು.
[೫೨] ಯೇಸು ಜ್ಞಾನದಲ್ಲಿಯೂ ದೇಹಬಲದಲ್ಲಿಯೂ ವೃದ್ಧಿಯಾಗುತ್ತಾ ಬಂದನು; ಇದಲ್ಲದೆ ದೇವರ
ಮತ್ತು ಮನುಷ್ಯರ ದಯೆಯು ಆತನ ಮೇಲೆ ಹೆಚ್ಚಾಗುತ್ತಾ ಬಂತು.

## ಸ್ನಾನಿಕನಾದ ಯೋಹಾನನು ಉಪದೇಶ ಮಾಡಿದ್ದು

(ಮತ್ತಾ. ೩.೧—೧೨; ಮಾರ್ಕ ೧.೨—೮)

೩ [೧] ಚಕ್ರವರ್ತಿಯಾದ ತಿಬೇರಿಯನು ಪಟ್ಟಕ್ಕೆ ಬಂದ ಹದಿನೈದನೆಯ ವರುಷದಲ್ಲಿ,
ಪೊಂತ್ಯಪಿಲಾತನು ಯೂದಾಯಕ್ಕೆ ಅಧಿಪತಿಯೂ ಹೆರೋದನು ಗಲಿಲಾಯಕ್ಕೆ
ಉಪರಾಜನೂ ಅವನ ತಮ್ಮನಾದ ಫಿಲಿಪ್ಪನು ಇತುರಾಯ ತ್ರಕೋನೀತಿ ಸೀಮೆಗಳಿಗೆ
ಉಪರಾಜನೂ ಲುಸನ್ಯನು ಅಬಿಲೇನೆಗೆ ಉಪರಾಜನೂ ಆಗಿರುವಲ್ಲಿ [೨] ಅನ್ನನೂ ಕಾಯಫನೂ
ಮಹಾಯಾಜಕರಾಗಿದ್ದ ಕಾಲದಲ್ಲಿ ಜಕರೀಯನ ಮಗನಾದ ಯೋಹಾನನಿಗೆ ಅಡವಿಯಲ್ಲಿ
ದೇವರ ವಾಕ್ಯವುಂಟಾಯಿತು. [೩] ಅವನು ಯೊರ್ದನ್ ಹೊಳೆಯ ಸುತ್ತಲಿರುವ ಪ್ರಾಂತ್ಯದಲ್ಲೆಲ್ಲಾ
ಸಂಚರಿಸಿ ಜನರಿಗೆ — ನೀವು ಪಾಪಪರಿಹಾರಕ್ಕಾಗಿ ದೇವರ ಕಡೆಗೆ ತಿರುಗಿಕೊಂಡು
ದೀಕ್ಷಾಸ್ನಾನ ಮಾಡಿಸಿಕೊಳ್ಳಬೇಕೆಂದು ಸಾರಿ ಹೇಳುವವನಾದನು. [೪] ಇದು ಯೆಶಾಯನೆಂಬ
ಪ್ರವಾದಿಯ ಗ್ರಂಥದಲ್ಲಿ ಬರೆದಿರುವ ಮಾತಿಗೆ ಅನುಸಾರವಾಗಿ ನಡೆಯಿತು. ಆ ಮಾತು
ಏನಂದರೆ—

ಕರ್ತನ ದಾರಿಯನ್ನು ಸಿದ್ಧಮಾಡಿರಿ, ಆತನ ಹಾದಿಗಳನ್ನು ನೆಟ್ಟಗೆ ಮಾಡಿರಿ. ಎಲ್ಲಾ ಹಳ್ಳಕೊಳ್ಳಗಳು
ಮುಚ್ಚಲ್ಪಡುವವು, ಎಲ್ಲಾ ಬೆಟ್ಟಗುಡ್ಡಗಳು ತಗ್ಗಿಸಲ್ಪಡುವವು, ಡೊಂಕಾಗಿರುವಂಥದು
ನೇಟಾಗುವದು, ಕೊರಕಲಾದ ದಾರಿಗಳು ಸಮವಾಗುವವು. ಎಲ್ಲಾ ಮನುಷ್ಯರೂ
ದೇವರಿಂದ ಸಿದ್ಧವಾಗುವ ರಕ್ಷಣೆಯನ್ನು ಕಾಣುವರು ಎಂಬದಾಗಿ

ಅಡವಿಯಲ್ಲಿ ಕೂಗುವವನ ಶಬ್ದವದೆ ಎಂಬದೇ. [೭] ಹೀಗಿರಲಾಗಿ ಅವನು ತನ್ನಿಂದ ದೀಕ್ಷಾಸ್ನಾನ
ಮಾಡಿಸಿಕೊಳ್ಳುವದಕ್ಕಾಗಿ ಹೊರಟುಬಂದ ಜನರ ಗುಂಪುಗಳಿಗೆ — ಎಲೈ ಸರ್ಪಜಾತಿಯವರೇ,
ಮುಂದೆ ಕಾಣಬರುವ ದೈವಕೋಪದಿಂದ ತಪ್ಪಿಸಿಕೊಳ್ಳುವದಕ್ಕೆ ನಿಮಗೂ ಉಪದೇಶ
ಮಾಡಿದವರಾರು? [೮] ಹಾಗಾದರೆ ನಿಮ್ಮ ಮನಸ್ಸು ದೇವರ ಕಡೆಗೆ ತಿರುಗಿತೆಂಬದನ್ನು ತಕ್ಕ
ಫಲಗಳಿಂದ ತೋರಿಸಿರಿ. ಅಬ್ರಹಾಮನು ನಮಗೆ ಮೂಲಪುರುಷನಲ್ಲವೇ ಎಂದುನಿಮ್ಮೊಳಗೆ
ಅಂದುಕೊಳ್ಳುವವರಾಗಬೇಡಿರಿ. ದೇವರು ಅಬ್ರಹಾಮನಿಗೆ ಈ ಕಲ್ಲುಗಳಿಂದಲು ಮಕ್ಕಳನ್ನು
ಹುಟ್ಟಿಸಬಲ್ಲನೆಂದು ನಿಮಗೆ ಹೇಳುತ್ತೇನೆ. [೯] ಈಗಲೇ ಮರಗಳ ಬೇರಿಗೆ ಕೊಡಲಿ ಹಾಕಿಯದೆ;
ಒಳ್ಳೇ ಫಲವನ್ನು ಕೊಡದ ಪ್ರತಿಯೊಂದು ಮರವನ್ನು ಕಡಿದು ಬೆಂಕಿಯಲ್ಲಿ ಹಾಕುವರು ಎಂದು
ಹೇಳಿದನು. [೧೦] ಆಗ ಆ ಗುಂಪಿನವರು — ಹಾಗಾದರೆ ನಾವೇನು ಮಾಡಬೇಕು ಎಂದು ಅವನನ್ನು
ಕೇಳಿದ್ದಕ್ಕೆ ಅವನು — [೧೧] ಎರಡು ಅಂಗಿಗಳುಳ್ಳವನು ಇಲ್ಲದವನಿಗೆ ಒಂದು ಕೊಡಲಿ;
ಆಹಾರವುಳ್ಳವನು ಇಲ್ಲದವನಿಗೆ ಕೊಡಲಿ ಎಂದು ಅವರಿಗೆ ಹೇಳಿದನು. [೧೨] ಸುಂಕದವರು ಸಹ
ದೀಕ್ಷಾಸ್ನಾನ ಮಾಡಿಸಿಕೊಳ್ಳಬೇಕೆಂದು ಬಂದು — ಗುರುವೇ, ನಾವೇನು ಮಾಡಬೇಕು ಎಂದು
ಅವನನ್ನು ಕೇಳಲು [೧೩] ಅವನು— ನೇಮಿಸಿದ ಹಾಸಲಿಗಿಂತ ಹೆಚ್ಚಾಗಿ ಏನೂ ಎಳಕೊಳ್ಳಬೇಡಿರಿ
ಎಂದು ಅವರಿಗೆ ಹೇಳಿದನು. [೧೪] ಸಿಪಾಯಿಗಳು ಸಹ ಬಂದು — ನಾವು ಏನು ಮಾಡಬೇಕು
ಎಂದು ಅವನನ್ನು ಕೇಳಿದಾಗ ಅವನು ಅವರಿಗೆ — ಯಾರನ್ನಾದರೂ
ಬೆದರಿಸಬೇಡಿರಿ; ಯಾರ ಮೇಲಾದರೂ ಸುಳ್ಳುದೂರು ತಂದು ದುಡ್ಡು
ಕಸಕೊಳ್ಳಬೇಡಿರಿ; ನಿಮ್ಮ ಸಂಬಳದಲ್ಲಿ ತೃಪ್ತರಾಗಿರಿ ಎಂದು ಹೇಳಿದನು.

[೧೫] ಹೀಗಿರುವಲ್ಲಿ ಇಸ್ರಾಯೇಲ್ ಜನರು ಬರಬೇಕಾದ ಕ್ರಿಸ್ತನನ್ನು
ಎದುರುನೋಡುವವರಾಗಿದ್ದದರಿಂದ ಅವರೆಲ್ಲರು ಯೋಹಾನನ ವಿಷಯವಾಗಿ ಇವನೇ ಆ
ಕ್ರಿಸ್ತನಾಗಿರಬಹುದೋ ಏನೋ ಎಂದು ತಮ್ಮ ಮನಸ್ಸಿನಲ್ಲಿ ವಿಚಾರಮಾಡಿಕೊಳ್ಳುತ್ತಿರಲು
[೧೬] ಯೋಹಾನನು ಅವರೆಲ್ಲರಿಗೆ — ನಾನಂತೂ ನಿಮಗೆ ನೀರಿನ ಸ್ನಾನಮಾಡಿಸುವವನು; ಆದರೆ

ನನಗಿಂತ ಶಕ್ತನು ಬರುತ್ತಾನೆ. ಆತನ ಕೆರಗಳ ಬಾರನ್ನು ಬಿಚ್ಚುವದಕ್ಕೂ ನಾನು ಯೋಗ್ಯನಲ್ಲ. ಆತನು
ಪವಿತ್ರಾತ್ಮದಲ್ಲಿಯೂ ಬೆಂಕಿಯಲ್ಲಿಯೂ ನಿಮಗೆ ಸ್ನಾನಮಾಡಿಸುವನು. ೧೭ ಆತನು ಮೊರವನ್ನು
ಕೈಯಲ್ಲಿ ಹಿಡಿದಿದ್ದಾನೆ; ತನ್ನ ಕಣದಲ್ಲಿಯ ರಾಶಿಯನ್ನು ತೂರಿ ಹಸನುಮಾಡಿ ತನ್ನ ಗೋದಿಯನ್ನು
ಕಣಜದಲ್ಲಿ ತುಂಬಿಕೊಳ್ಳುವದಕ್ಕಿದ್ದಾನೆ, ಹೊಟ್ಟನ್ನು ಆರದ ಬೆಂಕಿಯಲ್ಲಿ ಸುಟ್ಟುಬಿಡುವನು ಎಂದು
ಉತ್ತರಕೊಟ್ಟನು.
೧೮ ಇನ್ನು ಬೇರೆ ಅನೇಕ ಮಾತುಗಳಿಂದ ಅವನು ಇಸ್ರಾಯೇಲ್ ಜನರಿಗೆ ಬುದ್ಧಿಹೇಳಿ
ಸುವಾರ್ತೆಯನ್ನು ಸಾರುತ್ತಿದ್ದನು. ೧೯ ಆದರೆ ಉಪರಾಜನಾದ ಹೆರೋದನು ತನ್ನ ಅಣ್ಣನ
ಹೆಂಡತಿಯಾದ ಹೆರೋದ್ಯಳ ನಿಮಿತ್ತವಾಗಿಯೂ ತಾನು ಮಾಡಿದ್ದ ಎಲ್ಲಾ ದುಷ್ಕೃತ್ಯಗಳ
ನಿಮಿತ್ತವಾಗಿಯೂ ೨೦ ಯೋಹಾನನಿಂದ ಗದರಿಸಲ್ಪಟ್ಟವನಾಗಿ ಅವನನ್ನು ಸೆರೆಮನೆಯಲ್ಲಿ
ಹಾಕಿಸಿ ತನ್ನ ದುಷ್ಕೃತ್ಯಗಳ ಲೆಕ್ಕವನ್ನು ಇನ್ನೂ ಹೆಚ್ಚಿಸಿದನು.

### ಯೇಸು ದೀಕ್ಷಾಸ್ನಾನ ಮಾಡಿಸಿಕೊಂಡದ್ದು.

(ಮತ್ತಾ. ೩:೧೩-೧೭; ಮಾರ್ಕ ೧.೯-೧೧; ಯೋಹಾ. ೧.೩೨-೩೪)

೨೧ ಜನರೆಲ್ಲಾ ದೀಕ್ಷಾಸ್ನಾನ ಮಾಡಿಸಿಕೊಂಡಾಗ ಯೇಸು ಸಹ ಸ್ನಾನ ಮಾಡಿಸಿಕೊಂಡು
ಪ್ರಾರ್ಥನೆ ಮಾಡುತ್ತಿರುವಲ್ಲಿ ಆಕಾಶವು ತೆರೆಯಿತು; ೨೨ ಮತ್ತು ಪವಿತ್ರಾತ್ಮನು ದೇಹಾಕಾರವಾಗಿ
ಪಾರಿವಾಳದ ಹಾಗೆ ಆತನ ಮೇಲೆ ಇಳಿದನು. ಆಗ— ನೀನು ಪ್ರಿಯನಾಗಿರುವ ನನ್ನ ಮಗನು,
ನಿನ್ನನ್ನು ನಾನು ಮೆಚ್ಚಿದ್ದೇನೆ ಎಂದು ಆಕಾಶವಾಣಿ ಆಯಿತು.

### ಯೇಸು ಕ್ರಿಸ್ತನ ವಂಶಾವಳಿ

೨೩ ಯೇಸು ಉಪದೇಶಮಾಡುವದಕ್ಕೆ ಪ್ರಾರಂಭಿಸಿದಾಗ ಹೆಚ್ಚುಕಡಿಮೆ ಮೂವತ್ತು
ವರುಷದವನಾಗಿದ್ದನು. ಆತನು ಜನರ ಎಣಿಕೆಯಲ್ಲಿ ಯೋಸೇಫನ ಮಗನು. ೨೪ ಯೋಸೇಫನ
ಹೇಲೀಯ ಮಗನು; ಇವನು ಮತ್ಥಾತನು ಮಗನು; ಇವನು ಲೇವಿಯ ಮಗನು; ಇವನು ಮೆಲ್ಖಿಯ
ಮಗನು; ಇವನು ಯನ್ನಾಯನ ಮಗನು; ೨೫ ಇವನು ಯೋಸೇಫನ ಮಗನು; ಇವನು ಮತ್ತಥೀಯನ
ಮಗನು; ಇವನು ಆಮೋಸನ ಮಗನು; ಇವನು ನಹೂಮನ ಮಗನು; ಇವನು ಎ-ಸ್ಲಿಯ ಮಗನು;
೨೬ ಇವನು ನಗ್ಗಾಯನ ಮಗನ; ಇವನು ಮಹಾಥನ ಮಗನು; ಇವನು ಮತ್ತಥೀಯನ ಮಗನು;
ಇವನು ತಿಮೀಯ ಮಗನು; ಇವನು ಯೋಸೇಖನ ಮಗನು; ೨೭ ಇವನು ಯೂದನ ಮಗನು;
ಇವನು ಯೋಹಾನನ ಮಗನು; ಇವನು ರೇಸನ ಮಗನು; ಇವನು ಜೆರುಬಾಬೆಲನ ಮಗನು,
ಇವನು ಸಲಥಿಯೇಲನ ಮಗನು; ಇವನು ನೇರಿಯ ಮಗನು; ೨೮ ಇವನು ಮೆಲ್ಖಿಯ ಮಗನು;
ಇವನು ಅದ್ದಿಯ ಮಗನು; ಇವನು ಕೋಸಾಮನ ಮಗನು; ಇವನು ಎಲ್ಮದಾಮನ ಮಗನು; ಇವನು
ಏರನ ಮಗನು; ೨೯ ಇವನು ಯೆಹೋಷುವನ ಮಗನು; ಇವನು ಎಲಿಯೇಜರನ ಮಗನು; ಇವನು
ಯೋರ್ರೈಮನ ಮಗನು; ಇವನು ಮತ್ಥಾತನ ಮಗನು; ಇವನು ಲೇವಿಯ ಮಗನು; ೩೦ ಇವನು
ಸಿಮಿಯೋನನ ಮಗನು; ಇವನು ಯೂದನ ಮಗನು; ಇವನು ಯೋಸೇಫನ ಮಗನು; ಇವನು
ಯೋನಾಮನ ಮಗನು; ಇವನು ಎಲಿಯಕೀಮನ ಮಗನು; ೩೧ ಇವನು ಮೆಲೆಯಾನ ಮಗನು;
ಇವನು ಮೆನ್ನನ ಮಗನು; ಇವನು ಮತ್ತಾಥನ ಮಗನು; ಇವನು ನಾತಾನನ ಮಗನು; ಇವನು ದಾವೀದನ
ಮಗನು; ೩೨ ಇವನು ಇಶಾಯನ ಮಗನು; ಇವನು ಓಬೇದನ ಮಗನು; ಇವನು ಬೋವಜನ ಮಗನು;
ಇವನು ಸಲ್ಮೋನನ ಮಗನು; ಇವನು ನಹಸ್ಸೋನನ ಮಗನು; ೩೩ ಇವನು ಅಮ್ಮಿನಾದಾಬನ ಮಗನು;
ಇವನು ಆರ್ನೈಯನ ಮಗನು; ಇವನು ಎಸ್ರೋನನ ಮಗನು; ಇವನು ಪೆರೆಸನ ಮಗನು; ೩೪ ಇವನು
ಯೂದನ ಮಗನು; ಇವನು ಯಾಕೋಬನ ಮಗನು; ಇವನು ಇಸಾಕನ ಮಗನು; ಇವನು ಅಬ್ರಹಾಮನ
ಮಗನು; ಇವನು ತೇರನ ಮಗನು; ಇವನು ನಹೋರನ ಮಗನು; ೩೫ ಇವನು ಸೆರೂಗನ ಮಗನು;
ಇವನು ರೆಗೂವನ ಮಗನು; ಇವನು ಪೆಲೆಗನ ಮಗನು; ಇವನು ಹೇಬೆರನ ಮಗನು; ಇವನು
ಸಾಲನ ಮಗನು; ೩೬ ಇವನು ಕಯಿನಾನನ ಮಗನು; ಇವನು ಅರ್ಫಕ್ಷಾದನ ಮಗನು; ಇವನು ಶೇಮನ
ಮಗನು; ಇವನು ನೋಹನ ಮಗನು; ಇವನು ಲಾಮೆಕನ ಮಗನು; ೩೭ ಇವನು ಮತೂಷಲನ ಮಗನು;
ಇವನು ಹನೋಕನ ಮಗನು; ಇವನು ಯೆರೆದನ ಮಗನು; ಇವನು ಮಹಲಲೇಲನ ಮಗನು; ಇವನು
ಕಯಿನಾನನ ಮಗನು; ೩೮ ಇವನು ಎನೋಷನ ಮಗನು; ಇವನು ಸೇಥನ ಮಗನು; ಇವನು ಆದಾಮನ
ಮಗನು ಇವನು ದೇವರ ಮಗನು.

## ಸೈತಾನನು ಯೇಸುವನ್ನು ಪಾಪದಲ್ಲಿ ಸಿಕ್ಕಿಸುವದಕ್ಕೆ ಪ್ರಯತ್ನಿಸಿದ್ದು /(ಮತ್ತಾ. ೪:೧-೧೧; ಮಾರ್ಕ ೧.೧೨,೧೩)

೪ ೧ ಯೇಸು ಪವಿತ್ರಾತ್ಮಭರಿತನಾಗಿ ಯೊರ್ದನ್ ಹೊಳೆಯಿಂದ ಹಿತಿರುಗಿ ದೇವರಾತ್ಮನಿಂದ
ನಾಲ್ವತ್ತು ದಿವಸ ೨ ಅಡವಿಯಲ್ಲಿ ನಡಿಸಲ್ಪಡುತಸತಾ ಸೈತಾನನಿಂದ ಶೋಧಿಸಲ್ಪಟ್ಟನು. ಆ
ದಿವಸಗಳಲ್ಲಿ ಆತನು ಏನೂ ತಿನ್ನಲಿಲ್ಲ. ಅವು ಕಳೆದ ಮೇಲೆ ಆತನಿಗೆ ಹಸಿವಾಯಿತು. ೩ ಆಗ
ಸೈತಾನನು ಆತನಿಗೆ — ನೀನು ದೇವರ ಮಗನಾಗಿದ್ದರೆ ಈ ಕಲ್ಲು ರೊಟ್ಟಿಯಾಗುವಂತೆ ಇದಕ್ಕೆ
ಅಪ್ಪಣೆ ಕೊಡು ಎಂದು ಹೇಳಲು ೪ ಯೇಸು ಅವನಿಗೆ ಮನುಷ್ಯನು ರೊಟ್ಟಿ ತಿಂದ ಮಾತ್ರದಿಂದ
ಬದುಕುವದಿಲ್ಲ ಎಂದು ಬರೆದರೆ ಎಂತ ಉತ್ತರಕೊಟ್ಟನು.
೫ ಬಳಿಕ ಸೈತಾನನು ಆತನನ್ನು ಮೇಲಕ್ಕೆ ಕರೆದು ಕೊಂಡು ಹೋಗಿ ಕ್ಷಣಮಾತ್ರದಲ್ಲಿ ಲೋಕದ
ಎಲ್ಲಾ ರಾಜ್ಯಗಳನ್ನು ಆತನಿಗೆ ತೋರಿಸಿ ೬ ಈವೆಲ್ಲವುಗಳ ಅಧಿಕಾರವನ್ನೂ ಇವುಗಳ ವೈಭವವನ್ನೂ
ನಿನಗೆ ಕೊಡುವೆನು; ಇದೆಲ್ಲಾ ನನಗೆ ಕೊಟ್ಟದೆ, ಇದನ್ನು ನನ್ನ ಮನಸ್ಸು ಬಂದವನಿಗೆ
ಕೊಡುತ್ತೇನೆ; ೭ ನೀನು ನನ್ನ ಮುಂದೆ ಅಡ್ಡಬಿದ್ದರೆ ಇದೆಲ್ಲಾ ನಿನ್ನದಾಗುವದು ಎಂದು ಆತನಿಗೆ
ಹೇಳಿದನು. ೮ ಅದಕ್ಕೆ ಯೇಸು — ನಿನ್ನ ದೇವರಾಗಿರುವ ಕರ್ತನಿಗೆ ಅಡ್ಡಬಿದ್ದು ಆತನನೊಬ್ಬನನ್ನೇ
ಆರಾಧಿಸಬೇಕು ಎಂಬದಾಗಿ ಬರೆದದೆ ಎಂದು ಉತ್ತರಕೊಟ್ಟನು. ೯ ಇದಲ್ಲದೆ ಅವನು ಆತನನ್ನು
ಯೆರೂಸಲೇಮಿಗೆ ಕರೆದುಕೊಂಡು ಹೋಗಿ ದೇವಾಲಯದ ಶಿಖರದ ಮೇಲೆ ನಿಲ್ಲಿಸಿ
ಆತನಿಗೆ — ನೀನು ದೇವರ ಮಗನಾಗಿದ್ದರೆ ಇಲ್ಲಿಂದ ಕೆಳಕ್ಕೆ ದುಮುಕು.
೧೦ ನಿನ್ನನ್ನು ಕಾಯುವದಕ್ಕೆ ಆತನು ನಿನ್ನ ವಿಷಯವಾಗಿ ತನ್ನ ದೂತರಿಗೆ ಅಪ್ಪಣೆ ಕೊಡುವನು;
೧೧ ಮತ್ತು ನಿನ್ನ ಕಾಲು ಕಲ್ಲಿಗೆ ತಗಲೀತೆಂದು ಅವರು ನಿನ್ನನ್ನು ಕೈಗಳಲ್ಲಿ ಎತ್ತಿಕೊಳ್ಳುವರು
ಎಂಬದಾಗಿ ಬರೆದದೆಯಲ್ಲಾ ಎಂದು ಹೇಳಿದನು. ೧೨ ಅದಕ್ಕೆ ಯೇಸು — ನಿನ್ನ ದೇವರಾಗಿರುವ
ಕರ್ತನನ್ನು ಪರೀಕ್ಷಿಸಬಾರದೆಂದು ಹೇಳಿಯದೆ ಎಂತ ಉತ್ತರ ಕೊಟ್ಟನು.
೧೩ ಸೈತಾನನು ಸಕಲವಿಧವಾದ ಶೋಧನೆಯನ್ನು ಮುಗಿಸಿ ಸ್ವಲ್ಪಕಾಲ ಆತನನ್ನು ಬಿಟ್ಟು
ಹೊರಟುಹೋದನು.

## ಯೇಸು ಗಲಿಲಾಯದಲ್ಲಿ ಉಪದೇಶಮಾಡಿ ಕೀರ್ತಿಹೊಂದಿದ್ದು.

(ಮತ್ತಾ. ೧೩.೫೪-೫೮; ಮಾರ್ಕ ೬.೧-೬)

೧೪ ತರುವಾಯ ಯೇಸು ಪವಿತ್ರಾತ್ಮನ ಶಕ್ತಿಯಿಂದ ಕೂಡಿದವನಾಗಿ ತಿರಿಗಿ ಗಲಿಲಾಯಕ್ಕೆ
ಹೋದನು; ಆತನ ಸುದ್ದಿಯು ಸುತ್ತಲಿರುವ ಪ್ರಾಂತ್ಯದಲ್ಲೆಲ್ಲಾ ಹಬ್ಬಿಕೊಂಡಿತು. ೧೫ ಆತನು ಅವರ
ಸಭಾಮಂದಿರಗಳಲ್ಲಿ ಬೋಧಿಸುತ್ತಾ ಬಂದನು; ಎಲ್ಲರೂ ಆತನನ್ನು ಹೊಗಳಿದರು.

## ನಜರೇತಿನವರು ಯೇಸುವನ್ನು ತಳ್ಳಿಬಿಟ್ಟದ್ದು.

(ಮತ್ತಾ. ೧೩.೫೪-೫೮; ಮಾರ್ಕ ೬.೧-೬)

೧೬ ಹೀಗಿರಲಾಗಿ ಆತನು ತಾನು ಬೆಳೆದ ನಜರೇತಿಗೆ ಬಂದು ತನ್ನ ವಾಡಿಕೆಯ ಪ್ರಕಾರ
ಸಬ್ಬತ್‌ದಿನದಲ್ಲಿ ಸಭಾಮಂದಿರಕ್ಕೆ ಹೋಗಿ ಓದುವದಕ್ಕಾಗಿ ಎದ್ದು ನಿಂತನು. ೧೭ ಆಗ
ಯೆಶಾಯನೆಂಬ ಪ್ರವಾದಿಯ ಗ್ರಂಥದ ಸುರಳಿಯನ್ನು ಆತನ ಕೈಗೆ ಕೊಡಲಾಗಿ ಆತನು ಆ
ಸುರಳಿಯನ್ನು ಬಿಚ್ಚಿ ಮುಂದೆ ಹೇಳುವ ಮಾತು ಬರೆದಿರುವ ಸ್ಥಳವನ್ನು ಕಂಡು ಓದಿದನು; ಆ
ಮಾತೇನಂದರೆ —
೧೮ ಕರ್ತನ ಆತ್ಮವು ನನ್ನ ಮೇಲೆ ಅದೆ,
ಆತನು ನನ್ನನ್ನು ಬಡವರಿಗೆ ಶುಭವರ್ತಮಾನವನ್ನು ಸಾರುವದಕ್ಕೆ ಅಭಿಷೇಕಿಸಿದನು.
ಸೆರೆಯವರಿಗೆ ಬಿಡುಗಡೆಯಾಗುವದನ್ನು ಮತ್ತು ಕುರುಡರಿಗೆ ಕಣ್ಣುಬರುವದನ್ನು ಪ್ರಸಿದ್ಧಿ ಪಡಿಸುವದಕ್ಕೂ
ಕುಗ್ಗಿಸಲ್ಪಟ್ಟವರನ್ನು ಬಿಡಿಸಿ ಕಳುಹಿಸುವದಕ್ಕೂ
೧೯ ಕರ್ತನು ನೇಮಿಸಿರುವ ಶುಭವರ್ಷವನ್ನು ಪ್ರಚುರಪಡಿಸುವದಕ್ಕೂ
೨೦ ಓದಿದ ಮೇಲೆ ಆತನು ಆ ಸುರಳಿಯನ್ನು ಸುತ್ತಿ ಸಭಾಮಂದಿರದ ಆಳಿನ ಕೈಗೆ ಕೊಟ್ಟು
ಕೂತುಕೊಂಡನು. ಅಲ್ಲಿದ್ದವರೆಲ್ಲರ ಕಣ್ಣುಗಳು ಆತನ ಮೇಲೆಯೇ ಬಿದ್ದಿರಲಾಗಿ ೨೧ ಆತನು
ಅವರಿಗೆ — ಈ ಹೊತ್ತು ನೀವು ನನ್ನ ಮಾತನ್ನು ಕೇಳುವಲ್ಲಿ ಈ ವೇದೋಕ್ತಿ ನೆರವೇರಿದೆ

ಎಂದು ಹೇಳುತ್ತಿರುವಾಗ ೨೨ ಎಲ್ಲರು ಆತನನ್ನು ಹೊಗಳಿ ಆತನ ಬಾಯಿಂದ ಹೊರಡುವ ಇಂಪಾದ
ಮಾತುಗಳಿಗೆ ಆಶ್ಚರ್ಯಪಟ್ಟು ಇವನು ಯೋಸೇಫನ ಮಗನಲ್ಲವೇ ಎಂದು ಮಾತಾಡಿಕೊಂಡರು.
೨೩ ಆತನು ಅವರಿಗೆ — ನೀವಂತೂ ವೈದ್ಯನೇ, ನಿನ್ನನ್ನೇ ವಾಸಿಮಾಡಿಕೋ ಎಂಬ ಗಾದೆಯನ್ನು
ನನಗೆ ಹೇಳಿ ಕಪೆರ್ನೌಮಿನಲ್ಲಿ ಎಂಥೆಂಥ ಕಾರ್ಯಗಳು ನಡೆದವೆಂದು ನಾವು ಕೇಳಿದೆವೋ
ಅಂಥವುಗಳನ್ನು ಈ ನಿನ್ನ ಸ್ವಂತ ಸ್ಥಳದಲ್ಲಿ ಮಾಡು ಅನ್ನುವಿರಷ್ಟೆ. ೨೪ ಆದರೆ ಯಾವ ಪ್ರವಾದಿಯೂ
ಸ್ವದೇಶದಲ್ಲಿ ಸಮ್ಮತನಲ್ಲವೆಂದು ನಿಮಗೆ ಸತ್ಯವಾಗಿ ಹೇಳುತ್ತೇನೆ. ೨೫ ಕೇಳಿರಿ, ಎಲೀಯನ
ಕಾಲದಲ್ಲಿ ಮೂರು ವರುಷ ಆರು ತಿಂಗಳು ಮಳೆಬಾರದೆ ದೇಶದಲ್ಲೆಲ್ಲಾ ದೊಡ್ಡ ಬರ ಉಂಟಾದಾಗ
ಇಸ್ರಾಯೇಲ್ ಜನರಲ್ಲಿ ಎಷ್ಟೋ ಮಂದಿ ವಿಧವೆಯರು ಇದ್ದದ್ದು ನಿಜ; ೨೬ ಆದರೆ ಅವರಲ್ಲಿ
ಒಬ್ಬರ ಬಳಿಗೂ ದೇವರು ಎಲೀಯನನ್ನು ಕಳುಹಿಸದೆ ಸೀದೋನ್‌ದೇಶಕ್ಕೆ ಸೇರಿದ ಸರೆಪ್ತ
ಊರಿನಲ್ಲಿದ್ದ ಒಬ್ಬ ವಿಧವೆಯ ಬಳಿಗೆ ಮಾತ್ರ ಕಳುಹಿಸಿದನು. ೨೭ ಮತ್ತು ಎಲೀಷನೆಂಬ
ಪ್ರವಾದಿಯ ಕಾಲದಲ್ಲಿ ಇಸ್ರಾಯೇಲ್ ಜನರೊಳಗೆ ಎಷ್ಟೋ ಮಂದಿ ಕುಷ್ಠರೋಗಿಗಳು ಇದ್ದಾಗ್ಯೂ
ಅವರಲ್ಲಿ ಒಬ್ಬನಾದರೂ ಶುದ್ಧನಾಗದೆ ಸುರಿಯ ದೇಶದವನಾದ ನಾಮಾನನು ಮಾತ್ರ ಶುದ್ಧನಾದನು
ಎಂದು ಹೇಳಿದನು. ೨೮ ಸಭಾಮಂದಿರದಲ್ಲಿರುವವರೆಲ್ಲರು ಈ ಮಾತುಗಳನ್ನು ಕೇಳಿ ಬಹಳವಾಗಿ
ಸಿಟ್ಟುಗೊಂಡು ಎದ್ದು ಆತನನ್ನು ಊರಹೊರಕ್ಕೆ ಅಟ್ಟಿ ೨೯ ತಮ್ಮ ಊರು ಕಟ್ಟಿದ್ದ ಗುಡ್ಡದ ಕಡಿದಾದ
ಸ್ಥಳಕ್ಕೆ ನಡಿಸಿಕೊಂಡು ಹೋಗಿ ಅಲ್ಲಿಂದ ಕೆಳಕ್ಕೆ ದೊಬ್ಬಬೇಕೆಂದಿದ್ದರು. ೩೦ ಆದರೆ ಆತನು
ಅವರ ಮಧ್ಯದಲ್ಲಿ ಹಾದು ಹೊರಟು ಹೋದನು.

## ಯೇಸು ಕಪೆರ್ನೌಮೆಂಬ ಊರಿನಲ್ಲಿ ದೆವ್ವಗಳನ್ನು ಬಿಡಿಸಿ ರೋಗಿಗಳನ್ನು ಸ್ವಸ್ಥಮಾಡಿದ್ದು

(ಮತ್ತಾ ೮.೧೪-೧೭; ಮಾರ್ಕ ೧.೨೧-೩೯;)

೩೧ ಬಳಿಕ ಆತನು ಗಟ್ಟಾ ಇಳಿದು ಗಲಿಲಾಯಕ್ಕೆ ಸೇರಿದ ಕಪೆರ್ನೌಮೆಂಬ ಊರಿಗೆ
ಬಂದನು. ೩೨ ಅಲ್ಲಿ ಸಬ್ಬತ್‌ದಿನದಲ್ಲಿ ಅವರಿಗೆ ಉಪದೇಶಮಾಡುತ್ತಿರಲು ಆತನ ಮಾತು
ಅಧಿಕಾರವುಳ್ಳದ್ದಾಗಿದ್ದದರಿಂದ ಅವರು ಆತನ ಉಪದೇಶಕ್ಕೆ ಅತ್ಯಾಶ್ಚರ್ಯಪಟ್ಟರು. ೩೩ ಆ
ಸಭಾಮಂದಿರದಲ್ಲಿ ದೆವ್ವಹಿಡಿದ ಒಬ್ಬ ಮನುಷ್ಯನಿದ್ದನು. ೩೪ ಆ ದೆವ್ವವು—ಹಾ! ನಜರೇತಿನ
ಯೇಸುವೇ, ನಮ್ಮಗೊಡವೆ ನಿನಗೇಕೆ? ನಮ್ಮನ್ನು ನಾಶಮಾಡುವದಕ್ಕೆ ಬಂದೆಯಾ? ನಿನ್ನನ್ನು
ಬಲ್ಲೆನು. ನೀನು ದೇವರು ಪ್ರತಿಷ್ಠಿಸಿದವನೇ ಎಂದು ಅಬ್ಬರಿಸಿ ಹೇಳಿತು. ೩೫ ಯೇಸು
ಅದನ್ನು ಗದರಿಸಿ—ಸುಮ್ಮನಿರು, ಇವನನ್ನು ಬಿಟ್ಟು ಹೋಗು ಎನ್ನಲಾಗಿ ಆ ದೆವ್ವವು ಅವನನ್ನು
ನಡುವೆ ಕೆಡವಿ ಅವನಿಗೆ ಯಾವ ಕೇಡನ್ನೂ ಮಾಡದೆ ಬಿಟ್ಟುಹೋಯಿತು. ೩೬ ಅದಕ್ಕೆ
ಎಲ್ಲರು ಬೆರಗಾಇ—ಇದೆಂಥ ಮಾತಾಗಿರಬಹುದು? ಈತನು ಅಧಿಕಾರದಿಂದಲೂ ಬಲದಿಂದಲೂ
ದೆವ್ವಗಳಿಗೆ ಅಪ್ಪಣೆಕೊಡುತ್ತಾನೆ, ಅವು ಬಿಟ್ಟು ಹೋಗುತ್ತವೆ ಎಂದು ತಮ್ಮತಮ್ಮೊಳಗೆ
ಮಾತಾಡಿಕೊಂಡರು. ೩೭ ಮತ್ತು ಆತನು ಸುದ್ದಿಯು ಸುತ್ತಲಿರುವ ಪ್ರಾಂತ್ಯದ ಊರುಗಳಲ್ಲೆಲ್ಲಾ
ಹಬ್ಬಿತು.

೩೮ ಆತನು ಸಧಾಮಂದಿರದಿಂದೆದ್ದು ಸೀಮೋನನ ಮನೆಗೆ ಬಂದನು. ಅಲ್ಲಿ ಸೀಮೋನನ
ಅತ್ತೆಯು ಕಠಿನ ಜ್ವರದಿಂದ ಬಹಳ ಕಷ್ಟಪಡುತ್ತಿರಲಾಗಿ ಆಕೆಯ ವಿಷಯದಲ್ಲಿ ಆತನನ್ನು
ಬೇಡಿಕೊಂಡರು. ೩೯ ಆತನು ಆಕೆಯ ಬಳಿ ನಿಂತು ಬಾಗಿ ಆ ಜ್ವರವನ್ನು ಗದರಿಸಲು ಅದು
ಆಕೆಯನ್ನು ಬಿಟ್ಟುಹೋಯಿತು. ಕೂಡಲೆ ಆಕೆಯು ಎದ್ದು ಅವರಿಗೆ ಉಪಚಾರ ಮಾಡಿದಳು.

೪೦ ಹೊತ್ತು ಮುಣುಗುವಾಗ ಆದದ್ದೇನಂದರೆ ಯಾರಾರ ಮನೆಯಲ್ಲಿ ತರತರದ ರೋಗಗಳಿಂದ
ಅಸ್ವಸ್ಥವಾದವರಿದ್ದರೋ ಅವರೆಲ್ಲರು ಆ ರೋಗಿಗಳನ್ನು ಆತನ ಹತ್ತರಕ್ಕೆ ಕರಕೊಂಡು ಬಂದರು;
ಆತನು ಪ್ರತಿಯೊಬ್ಬನ ಮೇಲೆಯೂ ಕೈಯಿಟ್ಟು ಅವರನ್ನು ವಾಸಿಮಾಡಿದನು. ೪೧ ದೆವ್ವಗಳು
ಸಹ—ನೀನು ದೇವರ ಕುಮಾರನು ಎಂದು ಅಬ್ಬರಿಸಿ ಅನೇಕರನ್ನು ಬಿಟ್ಟುಹೋದವು. ತಾನು
ಕ್ರಿಸ್ತನೆಂದು ಅವುಗಳಿಗೆ ತಿಳಿದದ್ದರಿಂದ ಆತನು ಅವುಗಳನ್ನು ಮಾತಾಡದಂತೆ ಗದರಿಸಿದನು.

೪೨ ಬೆಳಗಾದ ಮೇಲೆ ಆತನು ಹೊರಟು ಅಡವಿಯ ಸ್ಥಳಕ್ಕೆ ಹೋದನು; ಜನರು ಗುಂಪುಗುಂಪಾಗಿ
ಆತನನ್ನು ಹುಡುಕಿಕೊಂಡು ಆತನಿದ್ದಲ್ಲಿಗೆ ಬಂದು —ನೀನು ನಮ್ಮನ್ನು ಬಿಟ್ಟುಹೋಗಬೇಡ ಎಂದು
ಆತನನ್ನು ತಡೆದರು. ೪೩ ಆದರೆ ಆತನು ಅವರಿಗೆ—ನಾನು ದೇವರ ರಾಜ್ಯದ ಸುವಾರ್ತೆಯನ್ನು
ಬೇರೆ ಊರುಗಳಿಗೂ ಸಾರಿ ಹೇಳಬೇಕಾಗಿದೆ; ಇದಕ್ಕಾಗಿಯೇ ಕಳುಹಿಸಲ್ಪಟ್ಟಿದ್ದೇನೆ ಎಂದು
ಹೇಳಿದನು.

೪೪ ಬಳಿಕ ಆತನು ಯೂದಾಯ ದೇಶದ ಸಭಾಮಂದಿರಗಳಲ್ಲಿ ಸುವಾರ್ತೆಯನ್ನು ಸಾರುತ್ತಾ ಇದ್ದನು.

## ಯೇಸು ಆಶ್ಚರ್ಯರೀತಿಯಿಂದ ಮೀನುಗಳನ್ನು ದೊರಕಿಸಿಕೊಟ್ಟು ಪ್ರಥಮಶಿಷ್ಯರನ್ನು ಮಾಡಿಕೊಂಡದ್ದು

೫ ೧ ಒಂದಾನೊಂದು ದಿವಸ ಜನರು ಒತ್ತಾಗಿ ಬಂದು ಆತನ ಮೇಲೆ ಬಿದ್ದುಕೊಂಡು ದೇವರ
ವಾಕ್ಯವನ್ನು ಕೇಳುತ್ತಿರಲು ೨ ಗೆನೇಜರೇತ್ ಕೆರೆಯ ಅಂಚಿನಲ್ಲಿ ನಿಂತಿದ್ದ ಆತನು ಆ ಕೆರೆಯ
ದಡದಲ್ಲಿ ಎರಡು ದೋಣಿಗಳನ್ನು ಕಂಡನು. ಬೆಸ್ತರು ಅವುಗಳೊಳಗಿಂದ ಹೊರಗೆ ಬಂದು ತಮ್ಮ
ಬಲೆಗಳನ್ನು ತೊಳೆಯುತ್ತಿದ್ದರು. ೩ ಆ ದೋಣಿಗಳಲ್ಲಿ ಸೀಮೋನನ ಒಂದು ದೋಣಿಯನ್ನು
ಆತನು ಹತ್ತಿ ದಡದಿಂದ ಸ್ವಲ್ಪ ದೂರಕ್ಕೆ ನೂಕಬೇಕೆಂದು ಅವನನ್ನು ಕೇಳಿಕೊಂಡನು. ತರುವಾಯ
ಆತನು ಕೂತುಕೊಂಡು ದೋಣಿಯೊಳಗಿಂದಲೇ ಆ ಜನರ ಗುಂಪಿಗೆ ಉಪದೇಶಮಾಡಿದನು.
೪ ಮಾತಾಡುವದನ್ನು ಮುಗಿಸಿದ ಮೇಲೆ ಸೀಮೋನನಿಗೆ—ಆಳವಾದ ಸ್ಥಳಕ್ಕೆ ದೋಣಿಯನ್ನು
ನಡಿಸಿ ಮೀನುಬೇಟೆಗಾಗಿ ನಿಮ್ಮ ಬಲೆಗಳನ್ನು ಹಾಕಿರಿ ಎಂದು ಹೇಳಿದನು. ೫ ಅದಕ್ಕೆ
ಸೀಮೋನನು—ಗುರುವೇ, ನಾವು ರಾತ್ರಿಯೆಲ್ಲಾ ಪ್ರಯಾಸಪಟ್ಟರೂ ಏನೂ ಸಿಕ್ಕಲಿಲ್ಲ; ಆದರೆ
ನಿನ್ನ ಮಾತಿನಮೇಲೆ ಬಲೆಗಳನ್ನು ಹಾಕುತ್ತೇನೆ ಅಂದನು. ೬ ಹಾಕಿದಮೇಲೆ ಮೀನುಗಳನ್ನು
ರಾಶಿರಾಶಿಯಾಗಿ ಸಿಕ್ಕಿಕೊಂಡು ಅವರ ಬಲೆಗಳು ಹರಿದುಹೋಗುತ್ತಿದ್ದವು. ೭ ಆಗ ಅವರು
ಮತ್ತೊಂದು ದೋಣಿಯಲ್ಲಿದ್ದ ತಮ್ಮ ಪಾಲುಗಾರರಿಗೆ—ನೀವು ಬಂದು ನಮಗೆ ನೆರವಾಗಬೇಕೆಂದ
ಸನ್ನೆಮಾಡಿದರು. ಅವರು ಬಂದು ಆ ಎರಡು ದೋಣಿಗಳಲ್ಲಿ ಮೀನುಗಳನ್ನು ತುಂಬಿಸಲು ಅವು
ಮುಳುಗುವ ಹಾಗಾದವು. ೮ ಸೀಮೋನ್ ಪೇತ್ರನು ಇದನ್ನು ಕಂಡು ಯೇಸುವಿನ ಮೊಣಕಾಲಿಗೆ
ಬಿದ್ದು ಸ್ವಾಮೀ, ನಾನು ಪಾಪಾತ್ಮನು; ನನ್ನನ್ನು ಬಿಟ್ಟುಹೋಗಬೇಕು ಅಂದನು. ೯ ಯಾಕಂದರೆ
ಅವನಿಗೂ ಅವನ ಸಂಗಡ ಇದ್ದವರೆಲ್ಲರಿಗೂ ತಾವು ಹಿಡಿದ ಮೀನುಗಳ ನಿಮಿತ್ತ ವಿಸ್ಮಯ
ಹಿಡಿದಿತ್ತು; ೧೦ ಸೀಮೋನನ ಪಾಲುಗಾರರಾಗಿದ್ದಂಥ ಜೆಬೆದಾಯನ ಮಕ್ಕಳಾದ ಯಾಕೋಬ
ಯೋಹಾನರೂ ಹಾಗೆಯೇ ವಿಸ್ಮಯಪಟ್ಟರು. ಯೇಸು ಸೀಮೋನನಿಗೆ—ಅಂಜಬೇಡ,
ಇಂದಿನಿಂದ ನೀನು ಮನುಷ್ಯರನ್ನು ಹಿಡಿಯುವವನಾಗಿರುವಿ ಎಂದು ಹೇಳಿದನು. ೧೧ ಅವರು
ತಮ್ಮ ದೋಣಿಗಳನ್ನು ದಡಕ್ಕೆ ತಂದು ಎಲ್ಲವನ್ನೂ ಬಿಟ್ಟು ಆತನನ್ನು ಹಿಂಬಾಲಿಸಿದರು.

## ಯೇಸು ಕುಷ್ಠರೋಗಿಯನ್ನು ವಾಸಿಮಾಡಿದ್ದು

(ಮತ್ತಾ. ೮.೨-೪; ಮಾರ್ಕ ೧.೪೦-೪೫)

೧೨ ಆತನು ಒಂದಾನೊಂದು ಊರಿನಲ್ಲಿದ್ದಾಗ ಮೈಯೆಲ್ಲಾ ಕುಷ್ಠರೋಗ ತುಂಬಿದ್ದ ಒಬ್ಬ
ಮನುಷ್ಯನು ಯೇಸುವನ್ನು ಕಂಡು ಅಡ್ಡಬಿದ್ದು —ಸ್ವಾಮೀ, ನಿನಗೆ ಮನಸ್ಸಿದ್ದರೆ ನನ್ನನ್ನು
ಶುದ್ಧಮಾಡಬಲ್ಲೆ ಎಂದು ಬೇಡಿಕೊಂಡನು. ೧೩ ಆತನು ಕೈನೀಡಿ ಅವನನ್ನು ಮುಟ್ಟಿ— ನನಗೆ
ಮನಸ್ಸುಂಟು; ಶುದ್ಧನಾಗು ಅಂದನು. ಕೂಡಲೆ ಅವನ ಕುಷ್ಠವು ಹೋಯಿತು. ೧೪ ಆಗ ಆತನು
ಅವನಿಗೆ—ನೀನು ಯಾರಿಗೂ ಹೇಳಬೇಡ; ಆದರೆ ಹೋಗಿ ಯಾಜಕನಿಗೆ ನಿನ್ನ ಮೈ
ತೋರಿಸಿ ಮೋಶೆಯು ನೇಮಕ ಮಾಡಿರುವದನ್ನು ಅರ್ಪಿಸಿ ನಿನ್ನ ಶುದ್ಧಾಚಾರವನ್ನು
ನೆರವೇರಿಸು, ಅದು ಜನರಿಗೆ ಸಾಕ್ಷಿಯಾಗಲಿ ಎಂದು ಅಪ್ಪಣೆಕೊಟ್ಟನು. ೧೫ ಆದರೂ ಆತನ
ಸುದ್ದಿಯು ಮತ್ತಷ್ಟು ಹಬ್ಬಿತು; ಮತ್ತು ಜನರು ಆತನ ಉಪದೇಶವನ್ನು ಕೇಳುವದಕ್ಕೂ ತಮ್ಮ ತಮ್ಮ
ಚಾಡ್ಯಗಳನ್ನು ವಾಸಿಮಾಡಿಸಿಕೊಳ್ಳುವದಕ್ಕೂ ಗುಂಪುಗುಂಪಾಗಿ ನೆರೆದರು. ೧೬ ಆತನಾದರೋ
ಅರಣ್ಯಪ್ರದೇಶಗಳಿಗೆ ಹೋಗಿ ದೇವರ ಪ್ರಾರ್ಥನೆಯನ್ನು ಮಾಡುತ್ತಿದ್ದನು.

## ಯೇಸು ಪಾರ್ಶ್ವವಾಯುರೋಗಿಯ ಪಾಪವನ್ನು ಕ್ಷಮಿಸಿ ಅವನನ್ನು ಗುಣಮಾಡಿದ್ದು.

(ಮತ್ತಾ. ೯.೨-೮; ಮಾರ್ಕ. ೨. ೧-೧೨.)

೧೭ ಒಂದಾನೊಂದು ದಿನದಲ್ಲಿ ಆತನು ಉಪದೇಶಮಾಡುತ್ತಿರಲು ಗಲಿಲಾಯ ಯೂದಾಯಗಳ
ಎಲ್ಲಾ ಗ್ರಾಮಗಳಿಂದಲೂ ಯೆರೂಸಲೇಮಿನಿಂದಲೂ ಬಂದಿದ್ದ ಫರಿಸಾಯರೂ ನ್ಯಾಯಶಾಸ್ತ್ರಿಗಳೂ
ಆತನ ಹತ್ತರ ಕೂತುಕೊಂಡಿದ್ದರು. ಗುಣಮಾಡುವದಕ್ಕೆ ಕರ್ತನ ಶಕ್ತಿಯು ಆತನಲ್ಲಿತ್ತು.
೧೮ ಹೀಗಿರುವಲ್ಲಿ ಕೆಲವು ಮಂದಿ ಗಂಡಸರು ಒಬ್ಬ ಪಾರ್ಶ್ವವಾಯುರೋಗದವನನ್ನು ದೋಲಿಯಲ್ಲಿ
ಹೊತ್ತುಕೊಂಡು ಬಂದರು; ಆದರೆ ಅವನನ್ನು ಒಳಗೆ ತೆಗೆದುಕೊಂಡುಹೋಗಿ ಆತನ
ಮುಂದೆ ಇಡಬೇಕೆಂದು ಪ್ರಯತ್ನಿಸಿದರೂ ೧೯ ಜನರು ಗುಂಪಾಗಿದ್ದದರಿಂದ ಅವನನ್ನು ಒಳಗೆ
ತೆಗೆದುಕೊಂಡುಹೋಗುವ ಮಾರ್ಗವನ್ನು ಕಾಣದೆ ಮನೆಯ ಮೇಲೆ ಹತ್ತಿ ಹಂಚುಗಳನ್ನು ತೆಗೆದು

ಅವನನ್ನು ಹಾಸಿಗೆಯ ಸಹಿತ ನಡುವೆ ಯೇಸುವಿನ ಮುಂದೆ ಇಳಿಯಬಿಟ್ಟರು. ೨೦ ಆತನು
ಅವರ ನಂಬಿಕೆಯನ್ನು ನೋಡಿ—ಅಪ್ಪಾ, ನಿನ್ನ ಪಾಪಗಳು ಕ್ಷಮಿಸಲ್ಪಟ್ಟಿವೆ ಅಂದನು. ೨೧ ಅದಕ್ಕೆ
ಆ ಶಾಸ್ತ್ರಿಗಳೂ ಫರಿಸಾಯರೂ—ದೇವದೂಷಣೆಯ ಮಾತನ್ನಾಡುವ ಇವನು ಎಷ್ಟರವನು?
ಪಾಪಗಳನ್ನು ಕ್ಷಮಿಸಿಬಿಡುವದು ದೇವರೊಬ್ಬನಿಂದ ಹೊರತು ಮತ್ತಾರಿಂದಾದೀತು ಎಂದು
ಅಂದುಕೊಳ್ಳುತ್ತಿದ್ದರು. ೨೨ ಆದರೆ ಅವರು ಹಾಗಂದುಕೊಳ್ಳುವದನ್ನು ಯೇಸು ತಿಳಿದುಕೊಂಡು
ಅವರಿಗೆ—ನೀವು ನಿಮ್ಮ ಮನಸ್ಸಿನಲ್ಲಿ ಅಂದುಕೊಳ್ಳುವದೇನು? ೨೩ ಯಾವದು ಸುಲಭ? ನಿನ್ನ
ಪಾಪಗಳು ಕ್ಷಮಿಸಲ್ಪಟ್ಟಿವೆ ಅನ್ನುವದೋ? ಎದ್ದು ನಡೆ ಅನ್ನುವದೋ ೨೪ ಆದರೆ ಪಾಪಗಳನ್ನು
ಕ್ಷಮಿಸಿಬಿಡುವದಕ್ಕೆ ಮನುಷ್ಯ ಕುಮಾರನಿಗೆ ಭೂಲೋಕದಲ್ಲಿ ಅಧಿಕಾರ ಉಂಟೆಂಬದು ನಿಮಗೆ
ತಿಳಿಯಬೇಕು ಎಂದು ಹೇಲಿ ಆ ಪಾರ್ಶ್ವವಾಯುರೋಗದವನನ್ನು ನೋಡಿ—ಎದ್ದು ನಿನ್ನ
ಹಾಸಿಗೆಯನ್ನು ಎತ್ತಿಕೊಂಡು ಮನೆಗೆ ಹೋಗೆಂದು ನಿನಗೆ ಹೇಳುತ್ತೇನೆ ಅಂದನು. ೨೫ ಅಂದ
ಕೂಡಲೆ ಅವನು ಅವರ ಮುಂದೆ ಎದ್ದು ತಾನು ಮಲಗಿದ್ದ ಹಾಸಿಗೆಯನ್ನು ಎತ್ತಿಕೊಂಡು ದೇವರನ್ನು
ಕೊಂಡಾಡುತ್ತಾ ಮನೆಗೆ ೨೬ ನೋಡಿದವರೆಲ್ಲರು ಬೆರಗಾಗಿ ದೇವರನ್ನು ಕೊಂಡಾಡಿದರು; ಮತ್ತು
ಅವರು ಭಯದಿಂದ ತುಂಬಿದವರಾಗಿ—ನಾವು ಈ ಹೊತ್ತು ಅಪೂರ್ವಸಂಗತಿಯನ್ನು ಕಂಡೆವು
ಅಂದರು.

### ಯೇಸು ಪಾಪಿಷ್ಠರ ಕೂರ ತಾನು ಊಟಮಾಡಿದ್ದಕ್ಕೆ ಮತ್ತು ತನ್ನ ಶಿಷ್ಯರು ಉಪವಾಸ ಮಾಡದೆಹೋದದ್ದಕ್ಕೆ ಕಾರಣ ತೋರಿಸಿದ್ದು.

(ಮತ್ತಾ. ೯.೯-೧೭; ಮಾರ್ಕ ೨. ೧೫-೨೨)

೨೭ ಇದಾದಮೇಲೆ ಆತನು ಹೊರಟು ಸುಂಕಕ್ಕೆ ಕೂತಿದ್ದ ಲೇವಿಯೆಂಬ ಒಬ್ಬ ಸುಂಕದವನನ್ನು
ಕಂಡು—ನನ್ನನ್ನು ಹಿಂಬಾಲಿಸು ಎಂದು ಅವನನ್ನು ಕರೆಯಲು ೨೮ ಅವನು ಎಲ್ಲವನ್ನೂ ಬಿಟ್ಟು ಎದ್ದು
ಆತನ ಹಿಂದೆ ಹೋದನು. ೨೯ ತರುವಾಯ ಲೇವಿಯು ತನ್ನ ಮನೆಯಲ್ಲಿ ಆತನಿಗೆ ಒಂದು ದೊಡ್ಡ
ಔತಣವನ್ನು ಮಾಡಿಸಲು ಸುಂಕದವರೂ ಇತರರೂ ಗುಂಪಾಗಿ ಕೂಡಿ ಅವರ ಸಂಗಡ ಊಟಕ್ಕೆ
ಕೂತುಕೊಂಡಿದ್ದರು. ೩೦ ಅದನ್ನು ಕಂಡು ಫರಿಸಾಯರೂ ಅವರಲ್ಲಿದ್ದ ಶಾಸ್ತ್ರಿಗಳೂ ಆತನ ಶಿಷ್ಯರ
ಮೇಲೆ ಗುಣುಗುಟ್ಟುತ್ತಾ—ನೀವು ಸಂಕದವರ ಮತ್ತು ಪಾಪಿಗಳ ಸಂಗಡ ಊಟಮಾಡುವದೇಕೆ
ಎಂದು ಕೇಳಿದರು. ೩೧ ಅದಕ್ಕೆ ಯೇಸು—ಕ್ಷೇಮದಿಂದಿರುವವರಿಗೆ ವೈದ್ಯನು ಬೇಕಾಗಿಲ್ಲ,
ಕ್ಷೇಮವಿಲ್ಲದವರಿಗೆ ಬೇಕು; ೩೨ ದೇವರ ಕಡೆಗೆ ತಿರುಗಿಕೊಳ್ಳಿರಿ ಎಂದು ನೀತಿವಂತರನ್ನು
ಕರೆಯುವದಕ್ಕೆ ನಾನು ಬಂದವನಲ್ಲ, ಪಾಪಿಗಳನ್ನು ಕರೆಯುವದಕ್ಕೆ ಬಂದವನು ಎಂದು ಅವರಿಗೆ
ಉತ್ತರಕೊಟ್ಟನು.
೩೩ ಅವರು ಆತನಿಗೆ—ಯೋಹಾನನ ಶಿಷ್ಯರು ಪದೇಪದೇ ಉಪವಾಸಗಳನ್ನೂ
ವಿಜ್ಞಾಪನೆಗಳನ್ನೂ ಮಾಡುತ್ತಾ ಇದ್ದಾರೆ; ಅದರಂತೆ ಫರಿಸಾಯರ ಶಿಷ್ಯರೂ ಮಾಡುತ್ತಾರೆ; ಆದರೆ
ನಿನ್ನ ಶಿಷ್ಯರು ಊಟಮಾಡುತ್ತಾರೆ. ೩೪ ಕುರಿಯುತ್ತಾರೆ ಎಂದು ಹೇಳಲು ಯೇಸು ಅವರಿಗೆ—
ಮದಲಿಂಗನು ಮದುವೇಜನರ ಸಂಗಡ ಇರುವಲ್ಲಿ ಅವರಿಗೆ ಉಪವಾಸಮಾಡಿಸುವದಕ್ಕೆ
ನಿಮ್ಮಿಂದಾದೀತೇ? ೩೫ ಆದರೆ ಮದಲಿಂಗನನ್ನು ಅವರ ಬಳಿಯಿಂದ ತೆಗೆದುಕೊಂಡುಹೋಗುವ
ಕಾಲ ಬರುತ್ತದೆ. ಆ ಕಾಲದಲ್ಲೇ ಉಪವಾಸಮಾಡುವರು ಎಂದು ಉತ್ತರಕೊಟ್ಟನು. ೩೬ ಅವರಿಗೆ
ಒಂದು ಸಾಮ್ಯವನ್ನು ಸಹ ಹೇಳಿದನು, ಅದೇನಂದರೆ—ಯಾರೂ ಹೊಸ ವಸ್ತ್ರದಿಂದ ಒಂದು
ತುಂಡನ್ನು ಹರಕೊಂಡು ಹಳೇ ವಸ್ತ್ರಕ್ಕೆ ತ್ಯಾಪೆ ಹಚ್ಚುವದಿಲ್ಲ; ಹಚ್ಚಿದರೆ ಆ ಹೊಸದನ್ನು ಹರಿದು
ಕೆಡಿಸಿದ ಹಾಗಾಗುವದಲ್ಲದೆ ಹೊಸದರಿಂದ ಹರಿದು ಹಚ್ಚಿದ ತ್ಯಾಪೆಯು ಹಳೇದಕ್ಕೆ ಒಪ್ಪುವದೂ
ಇಲ್ಲ. ೩೭ ಮತ್ತು ಹಳೇ ಬುದ್ದಲಿಗಳಲ್ಲಿ ಹೊಸ ದ್ರಾಕ್ಷಾರಸವನ್ನು ಯಾರೂ ಹಾಕಿಡುವದಿಲ್ಲ; ಇಟ್ಟರೆ
ಆ ಹೊಸ ದ್ರಾಕ್ಷಾರಸವು ಬುದ್ದಲಿಗಳನ್ನು ಒಡೆದು ತಾನೂ ಚೆಲ್ಲಿಹೋಗುವದಲ್ಲದೆ ಬುದ್ದಲಿಗಳೂ
ಕೆಟ್ಟುಹೋಗುವವು. ೩೮ ಆದರೆ ಹೊಸ ದ್ರಾಕ್ಷಾರಸವನ್ನು ಹೊಸ ಬುದ್ದಲಿಗಳಲ್ಲಿ ಹಾಕಿಡತಕ್ಕದ್ದು.
೩೯ ಇದಲ್ಲದೆ ಹಳೇ ದ್ರಾಕ್ಷಾರಸವನ್ನು ಕುಡಿದವನು ಹೊಸದು ಬೇಕು ಅನ್ನುವದಿಲ್ಲ; ಹಳೇದೇ
ಉತ್ತಮ ಅನ್ನುವನು.

### ಯೇಸುವೂ ಆತನ ಶಿಷ್ಯರೂ ಸಬ್ಬತ್‌ದಿನವನ್ನು ಅಲಕ್ಷ್ಯಮಾಡುತ್ತಾರೆಂದು ಫರಿಸಾಯರು ಆತನ ಮೇಲೆ ಆಕ್ಷೇಪಣೆಮಾಡಿದ್ದು.

(ಮತ್ತಾ. ೧೨:೧-೧೪; ಮಾರ್ಕ ೨.೨೩-೩,೬)

೬ ೧ ಒಂದಾನೊಂದು ಸಬ್ಬತ್‌ದಿನದಲ್ಲಿ ಯೇಸು ಪೈರಿನ ಹೊಲಗಳನ್ನು ಹಾದುಹೋಗುತ್ತಿರುವಾಗ
ಆತನ ಶಿಷ್ಯರು ತೆನೆಗಳನ್ನು ಮುರಿದು ಕೈಗಳಲ್ಲಿ ಹೊಸಗಿ ಕೊಂಡು ತಿನ್ನುತ್ತಿದ್ದರು. ೨ ಆದರೆ
ಫರಿಸಾಯರಲ್ಲಿ ಕೆಲವರು—ಸಬ್ಬತ್‌ದಿನದಲ್ಲಿ ಮಾಡಬಾರದ ಕೆಲಸವನ್ನು ನೀವು ಯಾಕೆ
ಮಾಡುತ್ತೀರಿ ಎಂದು ಕೇಳಿದ್ದಕ್ಕೆ ೩ ಯೇಸು ಅವರಿಗೆ—ದಾವೀದನು ತಾನೂ ತನ್ನ ಸಂಗಡ
ಇದ್ದವರೂ ಹಸಿದಾಗ ಏನು ಮಾಡಿದನೆಂಬದನ್ನು ನೀವು ಓದಲಿಲ್ಲವೋ? ೪ ಅವನು ದೇವರ
ಮಂದಿರದೊಳಕ್ಕೆ ಹೋಗಿ ಯಾಜಕರು ಮಾತ್ರವೇ ಹೊರತು ಮತ್ತಾರೂ ತಿನ್ನಬಾರದ ನೈವೇದ್ಯದ
ರೊಟ್ಟಿಗಳನ್ನು ಈಸಿಕೊಂಡು ತಿಂದು ತನ್ನ ಸಂಗಡ ಇದ್ದವರಿಗೂ ಕೊಟ್ಟನಲ್ಲಾ? ಎಂದು ಉತ್ತರಕೊಟ್ಟು
೫ ಮನುಷ್ಯಕುಮಾರನು ಸಬ್ಬತ್‌ದಿನಕ್ಕೆ ಒಡೆಯನಾಗಿದ್ದಾನೆ ಎಂದು ಅವರಿಗೆ ಹೇಳಿದನು.
೬ ಮತ್ತೊಂದು ಸಬ್ಬತ್‌ದಿನದಲ್ಲಿ ಆತನು ಸಭಾಮಂದಿರಕ್ಕೆ ಹೋಗಿ ಉಪದೇಶಮಾಡುತ್ತಿದ್ದಾಗ
ಅಲ್ಲಿ ಬಲಗೈ ಬತ್ತಿದವನೊಬ್ಬನು ಇದ್ದನು. ೭ ಶಾಸ್ತ್ರಿಗಳೂ ಫರಿಸಾಯರೂ ಆತನ ಮೇಲೆ
ತಪ್ಪುಹೊರಿಸುವದಕ್ಕೆ ಆಸ್ಪದ ಸಿಕ್ಕಬೇಕೆಂದು ಸಬ್ಬತ್‌ದಿನದಲ್ಲಿ ಸ್ವಸ್ಥಮಾಡುವನೋ ಏನೋ
ಎಂದು ಆತನನ್ನು ಹೊಂಚಿನೋಡುತ್ತಿದ್ದರು. ೮ ಆದರೆ ಆತನು ಅವರ ಯೋಚನೆಗಳನ್ನು
ತಿಳಿದು ಕೈ ಬತ್ತಿಹೋಗಿದ್ದ ಆ ಮನುಷ್ಯನಿಗೆ—ಎದ್ದು ನಡುವೆ ಬಂದು ನಿಂತುಕೋ ಎಂದು
ಹೇಳಿದನು. ೯ ಅವನು ಎದ್ದು ನಿಂತುಕೊಂಡನು. ಆಗ ಯೇಸು ಅವರಿಗೆ—ನಿಮ್ಮನ್ನು ಒಂದು
ಮಾತು ಕೇಳುತ್ತೇನೆ; ಸಬ್ಬತ್‌ದಿನದಲ್ಲಿ ಯಾವದನ್ನು ಮಾಡುವದು ನ್ಯಾಯ? ಮೇಲನ್ನು
ಮಾಡುವದೋ, ಕೇಡನ್ನು ಮಾಡುವದೋ? ಪ್ರಾಣವನ್ನು ಉಳಿಸುವದೋ, ಹಾಳುಮಾಡುವದೋ
ಎಂದು ಹೇಳಿ ಸುತ್ತಲೂ ಅವರೆಲ್ಲರನ್ನು ನೋಡಿ ೧೦ ಆ ಮನುಷ್ಯನಿಗೆ—ನಿನ್ನ ಕೈಚಾಚು ಎಂದು
ಹೇಳಿದನು. ಅವನು ಹಾಗೆಯೇ ಮಾಡಿದನು; ಕೈವಾಸಿಯಾಯಿತು. ೧೧ ಆದರೆ ಅವರಲ್ಲಿ
ದುರ್ಬುದ್ಧಿ ತುಂಬಿದ್ದದರಿಂದ—ಈ ಯೇಸುವಿಗೆ ಏನು ಮಾಡೋಣ ಎಂದು ತಮ್ಮತಮ್ಮೊಳಗೆ
ಮಾತಾಡಿಕೊಂಡರು.

### ಯೇಸು ಹನ್ನೆರಡು ಮಂದಿ ಅಪೋಸ್ತಲರನ್ನು ನೇಮಿಸಿದ್ದು.

(ಮತ್ತಾ. ೧೦.೨-೪; ಮಾರ್ಕ ೫.೧೩-೧೯)

೧೨ ಆ ದಿವಸಗಳಲ್ಲಿ ಆತನು ಪ್ರಾರ್ಥನೆಮಾಡುವದಕ್ಕಾಗಿ ಬೆಟ್ಟಕ್ಕೆ ಹೋಗಿ ರಾತ್ರಿಯನ್ನೆಲ್ಲಾ
ಪ್ರಾರ್ಥನೆಯಲ್ಲೇ ಕಳೆದನು. ೧೩ ಬೆಳಗಾದ ಮೇಲೆ ಆತನು ತನ್ನ ಶಿಷ್ಯರನ್ನು ಹತ್ತರಕ್ಕೆ ಕರೆದು
ಅವರಲ್ಲಿ ಹನ್ನೆರಡು ಮಂದಿಯನ್ನು ಆರಿಸಿಕೊಂಡು ಅವರಿಗೆ ಅಪೊಸ್ತಲರೆಂತ ಹೆಸರಿಟ್ಟನು.
೧೪ ಅವರು ಯಾರಾರಂದರೆ—ಆತನಿಂದ ಪೇತ್ರನೆಂಬ ಹೆಸರನ್ನು ಹೊಂದಿದ ಸೀಮೋನ, ಅವನ
ತಮ್ಮನಾದ ಅಂದ್ರೆಯ, ಯಾಕೋಬ, ಯೋಹಾನ, ಫಿಲಿಪ್ಪ, ಬಾರ್ತೊಲೊಮಾಯ, ೧೫ ಮತ್ತಾಯ,
ತೋಮ, ಅಲ್ಫಾಯನ ಮಗನಾದ ಯಾಕೋಬ, ಮತಾಭಿಮಾನಿ ಅನ್ನಿಸಿಕೊಂಡ ಸೀಮೋನ,
೧೬ ಯಾಕೋಬನ ಮಗನಾದ ಯೂದ, ಆತನನ್ನು ಹಿಡಿದುಕೊಡುವ ದ್ರೋಹಿಯಾದ ಇಸ್ಕರಿಯೋತ
ಯೂದ, ಇವರೇ.

### ಯೇಸು ಪರ್ವತದ ಮೇಲೆ ಒಂದು ಸಮಭೂಮಿಯಲ್ಲಿ ಮಾಡಿದ ಪ್ರಸಂಗವು.

(ಮತ್ತಾ. ೫.೩-೧೨; ೩೯-೪೮; ೭.೧-೫; ೧೬-೧೮; ೨೪-೨೭)

೧೭ ಆ ಮೇಲೆ ಆತನು ಅವರ ಸಂಗಡ ಬೆಟ್ಟದಿಂದ ಇಳಿದು ಸಮಭೂಮಿಯಲ್ಲಿ ನಿಂತನು.
ಆತನ ಶಿಷ್ಯರ ದೊಡ್ಡಗುಂಪು ಮತ್ತು ಎಲ್ಲಾ ಯೂದಾಯದಿಂದಲೂ ಯೆರೂಸಲೇಮಿನಿಂದಲೂ
ತೂರ್ ಸೀದೋನ್ ಪಟ್ಟಣಗಳಿರುವ ಸಮುದ್ರತೀರದಿಂದಲೂ ಬಂದಿದ್ದ ಜನರ ಮಹಾಸಮೂಹವು
ಆತನ ಸಂಗಡ ಇದ್ದವು. ಆ ಜನರು ಆತನ ಉಪದೇಶವನ್ನು ಕೇಳುವದಕ್ಕೂ ತಮ್ಮ ರೋಗಗಳನ್ನು
ವಾಸಿಮಾಡಿಸಿಕೊಳ್ಳುವದಕ್ಕೂ ಬಂದಿದ್ದರು. ೧೮ ಅವರಲ್ಲಿ ದೆವ್ವಗಳ ಕಾಟವಿದ್ದವರು
ಸ್ವಸ್ಥವಾದರು. ೧೯ ಮತ್ತು ಆತನಿಂದ ಶಕ್ತಿ ಹೊರಟು ಎಲ್ಲರನ್ನು ವಾಸಿಮಾಡುತ್ತಿದ್ದದರಿಂದ ಆ ಗುಂಪಿನ
ಜನರೆಲ್ಲಾ ಆತನನ್ನು ಮುಟ್ಟುವದಕ್ಕೆ ಪ್ರಯತ್ನಮಾಡಿದರು. ೨೦ ತರುವಾಯ ಆತನು ತನ್ನ ಶಿಷ್ಯರ
ಕಡೆಗೆ ಕಣ್ಣೆತ್ತಿನೋಡಿ ಹೇಳಿದ್ದೇನಂದರೆ—

೨೦ ಬಡವರಾದ ನೀವು ಧನ್ಯರು; ದೇವರ ರಾಜ್ಯವು ನಿಮ್ಮದೇ. ಈಗ ಹಸಿದಿರುವವರಾದ ನೀವು
ಧನ್ಯರು; ನಿಮಗೆ ತೃಪ್ತಿಯಾಗುವದು. ಈಗ ಅಳುವವರಾದ ನೀವು ಧನ್ಯರು; ನೀವು ನಗುವಿರಿ.
೨೨ ಮನುಷ್ಯಕುಮಾರನ ನಿಮಿತ್ತವಾಗಿ ಜನರು ನಿಮ್ಮನ್ನು ಹಗೆಮಾಡಿ ನಿಮಗೆ ಬಹಿಷ್ಕಾರಹಾಕಿ
ನಿಂದಿಸಿ ನಿಮ್ಮ ಹೆಸರನ್ನು ಕೆಟ್ಟದೆಂದು ತೆಗೆದುಹಾಕಿದರೆ ನೀವು ಧನ್ಯರು. ೨೩ ಆ ದಿನದಲ್ಲಿ
ಸಂತೋಷಪಡಿರಿ, ಕುಣಿದಾಡಿರಿ; ಪರಲೋಕದಲ್ಲಿ ನಿಮಗೆ ಬಹಳ ಫಲ ಸಿಕ್ಕುವದು ಎಂದು
ತಿಳುಕೊಳ್ಳಿರಿ. ಈ ಜನರ ಪಿತೃಗಳು ಪ್ರವಾದಿಗಳಿಗೂ ಹಾಗೆಯೇ ಮಾಡಿದರು. ೨೪ ಆದರೆ
ಐಶ್ವರ್ಯವಂತರೇ, ನಿಮ್ಮ ಗತಿಯನ್ನು ಏನು ಹೇಳಲಿ! ನಿಮ್ಮ ಸುಖ ನಿಮಗೆ ಬಂದದೆ. ೨೫ ಈಗ
ಹೊಟ್ಟೆತುಂಬಿದವರೇ, ನಿಮ್ಮ ಗತಿಯನ್ನು ಏನು ಹೇಳಲಿ! ನೀವು ಹಸಿಯುವಿರಿ. ಈಗ
ನಗುವವರೇ, ನಿಮ್ಮ ಗತಿಯನ್ನು ಏನು ಹೇಳಲಿ! ನೀವು ದುಃಖಪಟ್ಟು ಅಳುವಿರಿ. ೨೬ ಜನರೆಲ್ಲಾ
ನಿಮ್ಮನ್ನು ಹೊಗಳಿದರೆ ನಿಮ್ಮ ಗತಿಯನ್ನು ಏನು ಹೇಳಲಿ! ಅವರ ಪಿತೃಗಳು ಸುಳ್ಳುಪ್ರವಾದಿಗಳನ್ನು
ಹಾಗೆಯೇ ಹೊಗಳಿದರು.

೨೭ ಕೇಳುವವರಾದ ನಿಮಗೆ ನಾನು ಹೇಳುವದೇನಂದರೆ—ನಿಮ್ಮ ವೈರಿಗಳನ್ನು ಪ್ರೀತಿಸಿರಿ;
ನಿಮ್ಮನ್ನು ಹಗೆಮಾಡುವವರಿಗೆ ಉಪಕಾರಮಾಡಿರಿ; ೨೮ ನಿಮ್ಮನ್ನು ಶಪಿಸುವವರಿಗೆ
ಆಶೀರ್ವಾದಮಾಡಿರಿ; ನಿಮ್ಮನ್ನು ಒಯ್ಯುವವರಗೋಸ್ಕರ ದೇವರನ್ನು ಪ್ರಾರ್ಥಿಸಿರಿ. ೨೯ ನಿನ್ನನ್ನು
ಕೆನ್ನೆಯ ಮೇಲೆ ಬಡಿದವನಿಗೆ ಮತ್ತೊಂದು ಕೆನ್ನೆಯನ್ನೂ ತಿರುಗಿಸು; ನಿನ್ನ ಮೇಲಂಗಿಯನ್ನು
ಕಸುಕೊಳ್ಳುವವನಿಗೆ ಒಳಂಗಿಯನ್ನೂ ತಡೆಯಬೇಡ. ೩೦ ನಿನ್ನನ್ನು ಬೇಡುವವರೆಲ್ಲರಿಗೆ ಕೊಡು;
ನಿನ್ನ ಸೊತ್ತು ಕಸುಕೊಳ್ಳುವವನನ್ನು ಹಿಂದಕ್ಕೆ ಕೊಡೆಂದು ಕೇಳಬೇಡ. ೩೧ ಜನರು ನಿಮಗೆ
ಏನೇನು ಮಾಡಬೇಕೆಂದು ಅಪೇಕ್ಷಿಸುತ್ತೀರೋ, ಅಂಥದನ್ನೇ ನೀವು ಅವರಿಗೆ ಮಾಡಿರಿ.
೩೨ ನಿಮಗೆ ಪ್ರೀತಿ ತೋರಿಸುವವರನ್ನೇ ನೀವು ಪ್ರೀತಿಸಿದರೆ ನಿಮಗೆ ಏನು ಹೊಗಳಿಕೆ
ಬಂದೀತು? ಪಾಪಿಷ್ಠರು ಸಹ ತಮಗೆ ಪ್ರೀತಿ ತೋರಿಸುವವರನ್ನು ಪ್ರೀತಿಸುತ್ತಾರಲ್ಲಾ. ೩೩ ನಿಮಗೆ
ಮೇಲನ್ನು ಮಾಡುವವರಿಗೇ ನೀವು ಮೇಲನ್ನು ಮಾಡಿದರೆ ನಿಮಗೆ ಏನು ಹೊಗಳಿಕೆ
ಬಂದೀತು? ಪಾಪಿಷ್ಠರು ಸಹ ಹಾಗೆ ಮಾಡುತ್ತಾರಲ್ಲಾ. ೩೪ ಅವರು ನಮಗೂ ಸಾಲಕೊಟ್ಟಾರೆಂದು
ನೀವು ಯಾರಿಗಾದರೂ ಸಾಲಕೊಟ್ಟರೆ, ನಿಮಗೆ ಏನು ಹೊಗಳಿಕೆ ಬಂದೀತು? ಪಾಪಿಷ್ಠರು
ಸಹ ತಾವು ಕೊಟ್ಟಷ್ಟು ತಮಗೆ ತಿರಿಗಿ ಸಿಕ್ಕೀತೆಂದು ಪಾಪಿಷ್ಠರಿಗೆ ಸಾಲ ಕೊಡುತ್ತಾರಲ್ಲಾ.
೩೫ ನೀವಾದರೋ ನಿಮ್ಮ ವೈರಿಗಳನ್ನು ಪ್ರೀತಿಸಿ ಅವರಿಗೆ ಉಪಕಾರಮಾಡಿರಿ. ಧೈರ್ಯವನ್ನು
ಬಿಡದೆ ಸಾಲಕೊಡಿರಿ; ಹೀಗೇ ಮಾಡಿದರೆ, ನಿಮಗೆ ಬಹಳ ಫಲಸಿಕ್ಕುವದು, ಮತ್ತು
ನೀವು ಪರಾತ್ಪರನ ಮಕ್ಕಳಾಗುವರಿ. ಆತನಂತೂ ಉಪಕಾರನೆನಸದವರಿಗೂ ಕೆಟ್ಟವರಿಗೂ
ಉಪಕಾರಿಯಾಗಿದ್ದಾನೆ. ೩೬ ನಿಮ್ಮ ತಂದೆ ಕರುಣವುಳ್ಳವನಾಗಿರುವ ಪ್ರಕಾರವೇ ನೀವೂ
ಕರುಣವುಳ್ಳವರಾಗಿರಿ.

೩೭ ಇದಲ್ಲದೆ ತೀರ್ಪುಮಾಡಬೇಡಿರಿ, ಆಗ ನಿಮಗೂ ತೀರ್ಪಾಗುವದಿಲ್ಲ; ಅಪರಾಧಿಯೆಂದು
ನಿರ್ಣಯಿಸಬೇಡಿರಿ, ಆಗ ನಿಮ್ಮನ್ನೂ ಅಪರಾಧಿಗಳೆಂದು ನಿರ್ಣಯಿಸುವದಿಲ್ಲ; ಬಿಡಿಸಿರಿ, ಆಗ
ನಿಮ್ಮನ್ನು ಬಿಡಿಸುವರು; ೩೮ ಕೊಡಿರಿ, ಆಗ ನಿಮಗೂ ಕೊಡುವರು; ಜಡಿದು ಅಲ್ಲಾಡಿಸಿ ಹೊರ
ಚೆಲ್ಲುವ ಹಾಗೆ ತುಂಬಾ ಅಳತೆಯನ್ನು ಅಳೆದು ನಿಮ್ಮ ಸೆರಗಿಗೆ ಹಾಕುವರು. ನೀವು ಅಳೆಯುವ
ಅಳತೆಯಿಂದಲೇ ನಿಮಗೂ ಅಳೆಯುವರು ಅಂದನು.

೩೯ ಇದಲ್ಲದೆ ಆತನು ಅವರಿಗೆ ಒಂದು ಸಾಮ್ಯವನ್ನು ಹೇಳಿದನು. ಅದೇನಂದರೆ—ಕುರುಡನು
ಕುರುಡನಿಗೆ ದಾರೀ ತೋರುಸುವದಕ್ಕಾದೀತೇ? ಅವರಿಬ್ಬರೂ ಕುಣಿಯಲ್ಲಿಬೀಳುವರಲ್ಲವೆ.
೪೦ ಗುರುವಿಗಿಂತ ಶಿಷ್ಯನು ದೊಡ್ಡವನಲ್ಲ; ಆದರೆ ತೀರಾ ಕಲಿತವನಾದ ಪ್ರತಿಯೊಬ್ಬನು ತನ್ನ
ಗುರುವಿನಂತಾಗಿರುವನು.

೪೧ ಇದಲ್ಲದೆ ನೀನು ನಿನ್ನ ಕಣ್ಣಿನಲ್ಲಿರುವ ತೊಲೆಯನ್ನು ಯೋಚಿಸದೆ ನಿನ್ನ ಸಹೋದರನ
ಕಣ್ಣಿನಲ್ಲಿರುವ ರವೆಯನ್ನು ಯೋಚಿಸುವದೇಕೆ? ೪೨ ಇಲ್ಲವೆ ನಿನ್ನ ಕಣ್ಣಿನಲ್ಲಿರುವ ತೊಲೆಯನ್ನೇ
ನೀನು ನೋಡದೆ ನಿನ್ನ ಸಹೋದರನಿಗೆ—ಅಣ್ಣಾ, ನಿನ್ನ ಕಣ್ಣಿನೊಳಗಿನ ರವೆಯನ್ನು
ತೆಗೆಯುತ್ತೇನೆ ಬಾ ಎಂದು ಹೇಳುವದಕ್ಕೆ ಹೇಗಾದೀತು? ಕಪಟಿಯೇ, ಮೊದಲು ನಿನ್ನ
ಕಣ್ಣಿನೊಳಗಿಂದ ತೊಲೆಯನ್ನು ತೆಗೆದುಹಾಕಿಕೋ, ಆ ಮೇಲೆ ನಿನ್ನ ಸಹೋದರನ
ಕಣ್ಣಿನೊಳಗಿನ ರವೆಯನ್ನು ತೆಗೆಯುವದಕ್ಕೆ ಚೆನ್ನಾಗಿ ಕಾಣಿಸುವದು. ೪೩ ಒಳ್ಳೆಯ ಮರವು
ಹುಳುಕು ಫಲವನ್ನು ಕೊಡುವದಿಲ್ಲ; ಹಾಗೆಯೇ ಹುಳುಕುಮರವು ಒಳ್ಳೆಯ ಫಲವನ್ನು ಕೊಡುವದಿಲ್ಲ.
೪೪ ಪ್ರತಿಯೊಂದು ಮರದ ಗುಣವು ಅದರ ಫಲದಿಂದಲೇ ಗೊತ್ತಾಗುವದು. ಮುಳ್ಳುಗಿಡಗಳಲ್ಲಿ

ಅಂಜೂರದ ಹಣ್ಣುಗಳನ್ನು ಕೀಳುವದಿಲ್ಲ; ಗಜ್ಜುಗದ ಮೆಳೆಯಲ್ಲಿ ದ್ರಾಕ್ಷೇಹಣ್ಣುಗಳನ್ನು
ಕೊಯ್ಯುವದಿಲ್ಲ. [೪೫] ಒಳ್ಳೆಯವನು ತನ್ನ ಹೃದಯವೆಂಬ ಒಳ್ಳೆಯ ಬೊಕ್ಕಸದೊಳಗಿಂದ
ಒಳ್ಳೆಯದನ್ನು ತರುತ್ತಾನೆ; ಕೆಟ್ಟವನು ಕೆಟ್ಟಬೊಕ್ಕಸದೊಳಗಿಂದ ಕೆಟ್ಟದ್ದನ್ನು ತರುತ್ತಾನೆ;
ಹೃದಯದಲ್ಲಿ ತುಂಬಿರುವದೇ ಬಾಯಲ್ಲಿ ಹೊರಡುವದು.
[೪೬] ಇದಲ್ಲದೆ ನೀವು ನನ್ನನ್ನು ಸ್ವಾಮೀ ಸ್ವಾಮೀ ಅಂತ ಕರೆದು ನಾನು ಹೇಳುವದನ್ನು ನಡಿಸದೆ
ಇರುವದೇಕೆ? [೪೭] ನನ್ನ ಬಳಿಗೆ ಬಂದು ನನ್ನ ಮಾತುಗಳನ್ನು ಕೇಳಿ ಅವುಗಳಂತೆ ನಡೆಯುವವನು
ಯಾರಿಗೆ ಸಮಾನನೆಂಬದನ್ನು ನಿಮಗೆ ತೋರಿಸುತ್ತೇನೆ. [೪೮] ಅವನು ಅಳವಾಗಿ ಅಗಿದು
ಬಂಡೆಯ ಮೇಲೆ ಅಸ್ತಿವಾರವನ್ನು ಹಾಕಿ ಮನೇ ಕಟ್ಟಿದವನಿಗೆ ಸಮಾನನು; ಹೊಳೆಬಂದು
ಪ್ರವಾಹವು ಆ ಮನೆಗೆ ಬಡಿದಾಗ್ಯೂ ಅದು ಚೆನ್ನಾಗಿ ಕಟ್ಟಿದ್ದರಿಂದ ಆ ಪ್ರವಾಹವು ಅದನ್ನು
ಅಲ್ಲಾಡಿಸಲಾರದೆ ಹೋಯಿತು. [೪೯] ಆದರೆ ನನ್ನ ಮಾತುಗಳನ್ನು ಕೇಳಿಯೂ ಅವುಗಳಂತೆ
ನಡೆಯದಿರುವವನು ಅಸ್ತಿವಾರವಿಲ್ಲದೆ ನೆಲದ ಮೇಲೆ ಮನೇ ಕಟ್ಟಿದವನಿಗೆ ಸಮಾನನು.
ಪ್ರವಾಹವು ಅದಕ್ಕೆ ಬಡಿಯಿತು; ಬಡಿದ ಕೂಡಲೇ ಅದು ಕುಸಿದುಬಿದ್ದು ಪೂರಾ ಹಾಳಾಯಿತು.

## ಯೇಸು ಶತಾಧಿಪತಿಯ ಆಳನ್ನು ಸ್ವಸ್ಥಮಾಡಿದ್ದು.

(ಮತ್ತಾ. ೮.೫-೧೩)

೭ [೧] ಆತನು ತನ್ನ ಮಾತುಗಳನ್ನೆಲ್ಲಾ ಜನರು ಕೇಳುವಂತೆ ಹೇಳಿ ಮುಗಿಸಿದ ಮೇಲೆ
ಕಪೆರ್ನೌಮಿಗೆ ಬಂದನು. [೨] ಅಲ್ಲಿ ದಂಡಿನ ತತಾಧಿಪತಿಗೆ ಇಷ್ಟನಾದ ಒಬ್ಬ ಆಳು
ಕ್ಷೇಮವಿಲ್ಲದೆ ಸಾಯುವ ಹಾಗಿದ್ದನು. [೩] ಅವನು ಯೇಸುವಿನ ಸುದ್ದಿಯನ್ನು ಕೇಳೀ ಆತನ
ಬಳಿಗೆ—ನೀನು ಬಂದು ನನ್ನ ಆಳನ್ನು ಸ್ವಸ್ಥಮಾಡಬೇಕೆಂದು ಆತನನ್ನು ಬೇಡಿಕೊಳ್ಳುವ ಹಾಗೆ
ಯೆಹೂದ್ಯರ ಹಿರಿಯರನ್ನು ಕಳುಹಿಸಿದನು. [೪] ಅವರು ಯೇಸುವಿನ ಬಳಿಗೆ ಬಂದು —ನಿನ್ನಿಂದ
ಇಂಥ ಉಪಕಾರ ಹೊಂದುವದಕ್ಕೆ ಅವನು ಯೋಗ್ಯನು; [೫] ಅವನು ನಮ್ಮ ಜನರನ್ನು ಪ್ರೀತಿಸುವವನು,
ತಾನೇ ನಮ್ಮ ಸಭಾಮಂದಿರವನ್ನು ನಮಗಾಗಿ ಕಟ್ಟಿಸಿದನು ಎಂದು ಆತನನ್ನು ಬಹಲವಾಗಿ
ಬೇಡಿಕೊಳ್ಳಲು [೬] ಯೇಸು ಅವರ ಸಂಗಡ ಹೋದನು. ಆತನು ಇನ್ನೂ ಮನೆಗೆ ಮುಟ್ಟುವದಕ್ಕೆ
ಸ್ವಲ್ಪ ದೂರವಿರುವಾಗಲೇ ಶತಾಧಿಪತಿಯು ಸ್ನೇಹಿತರನ್ನು ಆತನ ಬಳಿಗೆ ಕಳುಹಿಸಿ—ಪ್ರಭುವೇ,
ತೊಂದರೆ ತೆಗೆದುಕೊಳ್ಳಬೇಡ; ನೀನು ನನ್ನ ಮನೆಗೆ ಬರತಕ್ಕಷ್ಟು ಯೋಗ್ಯತ ನನ್ನಲ್ಲಿಲ್ಲ. [೭] ಈ
ಕಾರಣದಿಂದ ನಾನು ನನ್ನನ್ನು ನಿನ್ನ ಬಳಿಗೆ ಬರುವದಕ್ಕೆ ತಕ್ಕವನೆಂದು ಎಣಿಸಿಕೊಳ್ಳಲಿಲ್ಲ.
ಆದರೆ ನೀನು ಒಂದು ಮಾತು ಹೇಳು, ನನ್ನ ಆಳಿಗೆ ಗುಣವಾಗುವದು. [೮] ನಾನು ಸಹ ಮತ್ತೊಬ್ಬರ
ಕೈಕೆಳಗಿರುವವನು; ನನ್ನ ಕೈಕೆಳಗೆ ಸಿಪಾಯಿಗಳಿದ್ದಾರೆ; ನಾನು ಅವರಲ್ಲಿ ಒಬ್ಬನಿಗೆ ಹೋಗು
ಎಂದು ಹೇಳಿದರೆ ಹೋಗುತ್ತಾನೆ; ಮತ್ತೊಬ್ಬನಿಗೆ ಬಾ ಎಂದು ಹೇಳಿದರೆ ಬರುತ್ತಾನೆ; ನನ್ನ
ಆಳಿಗೆ ಇಂಥಿಂಥದನ್ನು ಮಾಡು ಎಂದು ಹೇಳಿದರೆ ಮಾಡುತ್ತಾನೆ ಎಂಬದಾಗಿ ಹೇಳಿಸಿದನು.
[೯] ಯೇಸು ಈ ಮಾತನ್ನು ಕೇಳಿ ಅವನ ವಿಷಯದಲ್ಲಿ ಆಶ್ಚರ್ಯಪಟ್ಟು ತನ್ನ ಹಿಂದೆ ಬರುತ್ತಿರುವ
ಗುಂಪನ್ನು ಹಿಂತಿರುಗಿ ನೋಡಿ ನಾನು ಇಂಥ ದೊಡ್ಡ ನಂಬಿಕೆಯನ್ನು ಇಸ್ರಾಯೇಲ್ ಜನರಲ್ಲಿಯೂ
ಕಾಣಲಿಲ್ಲವೆಂದು ನಿಮಗೆ ಹೇಳುತ್ತೇನೆ ಅಂದನು. [೧೦] ತರುವಾಯ ಆ ಶತಾಧಿಪತಿಯ ಕಡೆಯಿಂದ
ಬಂದವರು ತಿರಿಗಿ ಮನೆಗೆ ಹೋಗಿ ಆಳು ಆರೋಗ್ಯವಾಗಿರುವದನ್ನು ಕಂಡರು.

## ನಾಯಿನೆಂಬ ಊರಿನಲ್ಲಿ ಸತ್ತುಹೋಗಿದ್ದ ಒಬ್ಬ ಯೌನಸ್ಥನನ್ನು ಯೇಸು ಬದುಕಿಸಿದ್ದು

[೧೧] ಸ್ವಲ್ಪಕಾಲದ ಮೇಲೆ ಆತನು ನಾಯಿನೆಂಬ ಊರಿಗೆ ಹೋದನು. ಆತನ ಜೊತೆಯಲ್ಲಿ
ಆತನ ಶಿಷ್ಯರೂ ಇನ್ನೂ ಅನೇಕ ಜನರೂ ಹೋಗುತ್ತಿದ್ದರು. [೧೨] ಆತನು ಊರಬಾಗಲಿನ ಹತ್ತಿರಕ್ಕೆ
ಬಂದಾಗ ಸತ್ತುಹೋಗಿದ್ದ ಒಬ್ಬನನ್ನು ಹೊರಗೆ ತರುತ್ತಿದ್ದರು. ಇವನು ತನ್ನ ತಾಯಿಗೆ ಒಬ್ಬನೇ
ಮಗನು; ಆಕೆಯು ಗಂಡಸತ್ತವಳಾಗಿದ್ದಳು. ಆಕೆಯ ಸಂಗಡ ಗ್ರಾಮಸ್ಥರು ಅನೇಕರಿದ್ದರು.
[೧೩] ಸ್ವಾಮಿಯು ಆಕೆಯನ್ನು ಕಂಡು ಕನಿಕರಿಸಿ— [೧೪] ಅಳಬೇಡ ಎಂದು ಆಕೆಗೆ ಹೇಳಿ ಚಟ್ಟದ
ಹತ್ತಿರಕ್ಕೆ ಹೋಗಿ ಅದನ್ನು ಮುಟ್ಟಲು ಹೊತ್ತುಕೊಂಡವರು ನಿಂತರು. ಆಗ ಆತನು—ಯೌವನಸ್ಥನೇ,
ಏಳು ಎಂದು ನಿನಗೆ ಹೇಳುತ್ತೇನೆ ಅಂದನು. [೧೫] ಅನ್ನುತ್ತಲೇ ಸತ್ತಿದ್ದವನು ಎದ್ದು ಕೂತುಕೊಂಡು
ಮಾತಾಡುವದಕ್ಕೆ ತೊಡಗಿದನು. ಯೇಸು ಅವನನ್ನು ಅವನ ತಯಿಗೆ ಕೊಟ್ಟನು. [೧೬] ಎಲ್ಲರು
ಭಯಹಿಡಿದವರಾಗಿ—ಮಹಾಪ್ರವಾದಿಯು ನಮ್ಮಲ್ಲಿ ಎದ್ದಿದ್ದಾನೆ, ದೇವರು ತನ್ನ ಜನರಿಗೆ

ದರ್ಶನವನ್ನು ಅನುಗ್ರಹಿಸಿದ್ದಾನೆ ಎಂದು ದೇವರನ್ನು ಕೊಂಡಾಡುವವರಾದರು. ೧೭ ಈ ವಾರ್ತೆಯು
ಯೂದಾಯದಲ್ಲಿಯೂ ಸುತ್ತಲಿರುವ ಎಲ್ಲಾ ಪ್ರಾಂತ್ಯದಲ್ಲಿಯೂ ಹಬ್ಬಿತು.

### ಸ್ನಾನಿಕನಾದ ಯೋಹಾನನು ಹೇಳಿಕಳುಹಿಸಿದ ಮಾತಿಗೆ ಯೇಸು ಉತ್ತರಕೊಟ್ಟದ್ದು.

(ಮತ್ತಾ. ೧೧:೨-೧೯)

೧೮ ಯೋಹಾನನ ಶಿಷ್ಯರು ನಡೆದ ಸಂಗತಿಗಳನ್ನೆಲ್ಲಾ ಅವನಿಗೆ ತಿಳಿಸಲು ೧೯ ಅವನು
ತನ್ನ ಶಿಷ್ಯರಲ್ಲಿ ಇಬ್ಬರನ್ನು ಕರೆದು—ಬರಬೇಕಾದವನು ನೀನೋ, ನಾವು ಬೇರೊಬ್ಬನ
ದಾರಿಯನ್ನು ನೋಡಬೇಕೋ ಎಂದು ಸ್ವಾಮಿಗೆ ಹೇಳಿಕಳುಹಿಸಿದನು. ೨೦ ಅವರು
ಆತನ ಬಳಿಗೆ ಬಂದು—ಬರಬೇಕಾದವನು ನೀನೋ, ನಾವು ಮತ್ತೊಬ್ಬನ ದಾರಿಯನ್ನು
ನೋಡಬೇಕೋ ಎಂದು ಕೇಳುವದಕ್ಕಾಗಿ ಸ್ನಾನಿಕನಾದ ಯೋಹಾನನು ನಮ್ಮನ್ನು ನಿನ್ನ ಬಳಿಗೆ
ಕಳುಹಿಸಿದ್ದಾನೆ ಅಂದರು. ೨೧ ಅದೇ ಗಳಿಗೆಯಲ್ಲಿ ಆತನು ಅನೇಕರನ್ನು ರೋಗ ಉಪದ್ರವ
ದೆವ್ವ ಇಂಥವುಗಳಿಂದ ಬಿಡಿಸಿ ವಾಸಿಮಾಡಿದನು; ಮತ್ತು ಅನೇಕ ಮಂದಿ ಕುರುಡರಿಗೆ ಕಣ್ಣನ್ನು
ದಯಪಾಲಿಸಿದನು. ೨೨ ಹೀಗಿರಲು ಆತನು ಅವರಿಗೆ ಪ್ರತ್ಯುತ್ತರವಾಗಿ—ನೀವು ಹೋಗಿ ಕಂಡು
ಕೇಳಿದವುಗಳನ್ನು ಯೋಹಾನನಿಗೆ ತಿಳಿಸಿರಿ; ಕುರುಡರಿಗೆ ಕಣ್ಣು ಬರುತ್ತವೆ, ಕುಂಟರಿಗೆ
ಕಾಲುಬರುತ್ತವೆ, ಕುಷ್ಠರೋಗಿಗಳು ಶುದ್ಧರಾಗುತ್ತಾರೆ, ಕಿವುಡರಿಗೆ ಕಿವಿಬರುತ್ತವೆ, ಸತ್ತವರು
ಜೀವವನ್ನು ಹೊಂದುತ್ತಾರೆ, ಬಡವರಿಗೆ ಸುವಾರ್ತೆ ಸಾರಲ್ಪಡುತ್ತದೆ. ೨೩ ನನ್ನ ವಿಷಯದಲ್ಲಿ
ಸಂಶಯಪಡದವನೇ ಧನ್ಯನು ಎಂದು ಹೇಳಿದನು.

೨೪ ಯೋಹಾನನ ದೂತರು ಹಿಂತಿರುಗಿ ಹೋಗಲು ಆತನು ಯೋಹಾನನ ವಿಷಯವಾಗಿ
ಆ ಜನರ ಗುಂಪುಗಳಿಗೆ ಹೇಳತೊಡಗಿದ್ದೇನಂದರೆ—ಏನು ನೋಡಬೇಕೆಂದು ಅಡವಿಗೆ
ಹೋಗಿದ್ದಿರಿ? ಗಾಳಿಯಿಂದ ಅಲ್ಲಾಡುವ ದಂಟನ್ನೋ? ೨೫ ಅಲ್ಲವಾದರೆ ಏನು ನೋಡಬೇಕೆಂದು
ಹೋಗಿದ್ದಿರಿ? ನಯವಾದ ಉಡುಪನ್ನು ಹಾಕಿಕೊಂಡ ಮನುಷ್ಯನನ್ನೋ? ಶೋಭಾಯಮಾನವಾದ
ಉಡುಪನ್ನು ಧರಿಸಿ ಭೋಗದಲ್ಲಿ ಬಾಳುವವರು ಅರಮನೆಗಳಲ್ಲಿ ಇರುತ್ತಾರಷ್ಟೆ. ೨೬ ಹಾಗಾದರೆ ಏನು
ನೋಡಬೇಕೆಂದು ಹೋಗಿದ್ದಿರಿ? ಪ್ರವಾದಿಯನ್ನೋ? ಹೌದು, ಪ್ರವಾದಿಗಿಂತಲೂ ಹೆಚ್ಚಿನವನನ್ನು
ನೋಡಿದಿರಿ ಎಂದು ನಿಮಗೆ ಹೇಳುತ್ತೇನೆ.

೨೭ ಇಗೋ, ನನ್ನ ದೂತನನ್ನು ನಿನ್ನ ಮುಂದೆ ಕಳುಹಿಸುತ್ತೇನೆ.
ನೀನು ಹೋಗುವ ದಾರಿಯನ್ನು ಅವನು ನಿನ್ನ ಮುಂದೆ ಸರಿಮಾಡುವನು
ಎಂದು ಯಾರ ವಿಷಯವಾಗಿ ಬರೆದದೆಯೋ ಆ ಪುರುಷನು ಇವನೇ.

೨೮ ಸ್ತ್ರೀಯರಲ್ಲಿ ಹುಟ್ಟಿದವರೊಳಗೆ ಯೋಹಾನನಿಗಿಂತ ದೊಡ್ಡವನು ಒಬ್ಬನೂ ಇಲ್ಲ; ಅದರೂ
ದೇವರ ರಾಜ್ಯದಲ್ಲಿ ಚಿಕ್ಕವನು ಅವನಿಗಿಂತಲೂ ದೊಡ್ಡವನೆಂದು ನಿಮಗೆ ಹೇಳುತ್ತೇನೆ.
೨೯ ಇದಲ್ಲದೆ ಜನರೆಲ್ಲರೂ ಸುಂಕದವರೂ ಯೋಹಾನನ ಉಪದೇಶವನ್ನು ಕೇಳಿದಾಗ
ಅವನಿಂದ ದೀಕ್ಷಾಸ್ನಾನ ಮಾಡಿಸಿಕೊಂಡದ್ದರಲ್ಲಿ ದೇವರು ನೀತಿವಂತನೆಂದು ಒಪ್ಪಿಕೊಂಡರು.
೩೦ ಆದರೆ ಫರಿಸಾಯರೂ ಧರ್ಮೋಪದೇಶಕರೂ ಅವನಿಂದ ದೀಕ್ಷಾಸ್ನಾನ ಮಾಡಿಸಿಕೊಳ್ಳದೆ
ಹೋದದ್ದರಲ್ಲಿ ತಮ್ಮ ವಿಷಯವಾಗಿ ದೇವರ ಸಂಕಲ್ಪವನ್ನು ನಿರಾಕರಿಸಿದರು. ೩೧ ಹೀಗಿರುವಲ್ಲಿ
ಈ ಕಾಲದ ಜನರನ್ನು ಯಾರಿಗೆ ಹೋಲಿಸಲಿ? ಅವರು ಯಾರನ್ನು ಹೋಲುತ್ತಾರೆ? ೩೨ ಪೇಟೆಯಲ್ಲಿ
ಕೂತುಕೊಂಡು—ನಿಮಗೋಸ್ಕರ ಕೊಳಲೂದಿದೆವು, ನೀವು ಕುಣಿಯಲಿಲ್ಲ; ಗೋಳಾಡಿದೆವು,
ನೀವು ಅಳಲಿಲ್ಲ ಎಂದು ಒಬ್ಬರಿಗೊಬ್ಬರು ಕೂಗಿ ಹೇಳುವಂಥ ಹುಡುಗರನ್ನು ಹೋಲುತ್ತಾರೆ.
೩೩ ಹೇಗಂದರೆ ಸ್ನಾನಿಕನಾದ ಯೋಹಾನನು ಬಂದಿದ್ದಾನೆ; ಅವನು ರೊಟ್ಟಿ ತಿನ್ನದವನು, ದ್ರಾಕ್ಷಾರಸ
ಕುಡಿಯದವನು; ನೀವು—ಅವನಿಗೆ ದೆವ್ವ ಹಿಡಿದದೆ ಅನ್ನುತ್ತೀರಿ. ೩೪ ಮನುಷ್ಯಕುಮಾರನು
ಬಂದಿದ್ದಾನೆ, ಅವನು ಅನ್ನ ಪಾನಗಳನ್ನು ತೆಗೆದುಕೊಳ್ಳುವವನಾಗಿದ್ದಾನೆ; ನೀವು—ಇಗೋ, ಇವನು
ಹೊಟ್ಟೆಬಾಕನು, ಕುಡುಕನು, ಭ್ರಷ್ಟರ ಮತ್ತು ಪಾಪಿಷ್ಠರ ಗೆಳೆಯನು ಅನ್ನುತ್ತೀರಿ. ೩೫ ಅದರೆ ಜ್ಞಾನವು
ಸಕಲ ಜ್ಞಾನಾವಲಂಬಿಗಳ ಮೂಲಕ ಜ್ಞಾನವೇ ಎಂದು ಗೊತ್ತಾಗುವದು ಅಂದನು. /ಯೇಸು ಒಬ್ಬ
ಫರಿಸಾಯನ ಮನೆಯಲ್ಲಿ ಊಟಮಾಡುವಾಗ ದುರಾಚಾರಿಯಾದ ಒಬ್ಬ ಹೆಂಗಸು ಬಂದು ಆತನ
ಪಾದಸೇವೆ ಮಾಡಿದ್ದು.

೩೬ ಫರಿಸಾಯರಲ್ಲಿ ಒಬ್ಬನು ಆತನನ್ನು ತನ್ನ ಜೊತೆಯಲ್ಲಿ ಊಟಮಾಡಬೇಕೆಂದು
ಬೇಡಿಕೊಂಡಾಗ ಆತನು ಆ ಫರಿಸಾಯನ ಮನೆಗೆ ಹೋಗಿ ಊಟಕ್ಕೆ ಒರಗಿಕೊಂಡನು.
೩೭ ಆಗ ಆ ಊರಲ್ಲಿದ್ದ ದುರಾಚಾರಿಯಾದ ಒಬ್ಬ ಹೆಂಗಸು ಫರಿಸಾಯನ ಮನೆಯಲ್ಲಿ ಆತನು

ಊಟಕ್ಕೆ ಒರಗಿದ್ದಾನೆಂದು ಗೊತ್ತುಹಿಡುಕೊಂಡು ಸುಗಂಧತೈಲದ ಭರಣಿಯನ್ನು ತೆಗೆದುಕೊಂಡು
ಬಂದು ೩೮ ಹಿಂದೆ ಆತನ ಪಾದಗಳ ಬಳಿಯಲ್ಲಿ ನಿಂತುಕೊಂಡು ಅಳುತ್ತಾ ತನ್ನ ಕಣ್ಣೀರಿನಿಂದ
ಆತನ ಪಾದಗಳನ್ನು ತ್ಯಾವಮಾಡಿ ತನ್ನ ತಲೇಕೂದಲಿನಿಂದ ಒರಸಿ ಅವುಗಳಿಗೆ ಮುದ್ದಿಟ್ಟು ಆ
ತೈಲವನ್ನು ಹಚ್ಚಿದಳು. ೩೯ ಆದರೆ ಆತನನ್ನು ಊಟಕ್ಕೆ ಕರೆದ ಫರಿಸಾಯನು ಇದನ್ನು ಕಂಡು—ಇವಳು
ದುರಾಚಾರಿ; ಇವನು ಪ್ರವಾದಿಯಾಗಿದ್ದರೆ ತನ್ನನ್ನು ಮುಟ್ಟಿದ ಈ ಹೆಂಗಸು ಇಂಥವಳೆಂದು
ತಿಳುಕೊಳ್ಳುತ್ತಿದ್ದನು ಅಂದುಕೊಂಡನು. ೪೦ ಅದಕ್ಕೆ ಯೇಸು—ಸೀಮೋನನೇ, ನಾನು
ನಿನಗೆ ಹೇಳಬೇಕಾದ ಒಂದು ಮಾತದೆ ಅಂದಾಗ ಅವನು—ಬೋಧಕನೇ, ಹೇಳು ಅಂದನು.
೪೧ ಆಗ ಯೇಸು—ಒಬ್ಬ ಸಾಹುಕಾರನಿಗೆ ಇಬ್ಬರು ಸಲಗಾರರಿದ್ದರು; ಒಬ್ಬನು ಐನೂರು ಹಣ
ಕೊಡಬೇಕಾಗಿತ್ತು. ಮತ್ತೊಬ್ಬನು ಐವತ್ತು ಹಣ ಕೊಡಬೇಕಾಗಿತ್ತು ೪೨ ತೀರಿಸುವದಕ್ಕೆ ಅವರಿಗೆ
ಗತಿಯಿಲ್ಲದ್ದರಿಂದ ಆ ಇಬ್ಬರಿಗೂ ಸಾಲವನ್ನು ಬಿಟ್ಟುಬಿಟ್ಟನು. ಹಾಗಾದರೆ ಅವರಲ್ಲಿ ಯಾವನು ಆ
ಸಾಹುಕಾರನನ್ನು ಹೆಚ್ಚಾಗಿ ಪ್ರೀತಿಸಾನು ಎಂದು ಕೇಳಿದ್ದಕ್ಕೆ ೪೩ ಸೀಮೋನನು—ಯಾವನಿಗೆ
ಹೆಚ್ಚಾಗಿ ಬಿಟ್ಟನೋ ಅವನೇ ಎಂದು ಭಾವಿಸುತ್ತೇನೆ ಅಂದನು. ಯೇಸು ಅವನಿಗೆ—ನೀನು
ಸರಿಯಾಗಿ ತೀರ್ಪುಮಾಡಿದಿ ಎಂದು ಹೇಳಿ ೪೪ ಆ ಹೆಂಗಸಿನ ಕಡೆಗೆ ತಿರುಗಿಕೊಂಡು
ಸೀಮೋನನಿಗೆ ಹೇಳಿದ್ದೇನಂದರೆ—ಈ ಹೆಂಗಸನ್ನುನೋಡಿದಿಯಾ? ನಾನು ನಿನ್ನ ಮನೆಗೆ
ಬಂದಾಗ ನೀನು ನನ್ನ ಕಾಲಿಗೆ ನೀರು ಕೊಡಲಿಲ್ಲ; ಇವಳಾದರೋ ನನ್ನ ಕಾಲುಗಳನ್ನು ಕಣ್ಣೀರಿನಿಂದ
ತ್ಯಾವಮಾಡಿ ತನ್ನ ತಲೆಯಕೂದಲಿನಿಂದ ಒರಸಿದಳು. ೪೫ ನೀನು ನನಗೆ ಮುದ್ದಿಡಲಿಲ್ಲ;
ಇವಳಾದರೋ ನಾನು ಒಳಗೆ ಬಂದಾಗಿನಿಂದ ನನ್ನ ಕಾಲಿಗೆ ಮುದ್ದಿಡುವದನ್ನು ಬಿಟ್ಟಿಲ್ಲ.
೪೬ ನೀನು ನನ್ನ ತಲೆಗೆ ಎಣ್ಣೆ ಹಚ್ಚಲಿಲ್ಲ; ಇವಳಾದರೋ ಸುಗಂಧ ತೈಲವನ್ನು ಕಾಲಿಗೆ ಹಚ್ಚಿದಳು.
೪೭ ಹೀಗಿರಲು ನಾನು ಹೇಳುವ ಮಾತೇನಂದರೆ—ಇವಳ ಪಾಪಗಳು ಬಹಳವಾಗಿದ್ದರೂ ಅವು
ಕ್ಷಮಿಸಲ್ಪಟ್ಟವೆ. ಇದಕ್ಕೆ ಪ್ರಮಾಣವೇನಂದರೆ ಇವಳು ತೋರಿಸಿದ ಪ್ರೀತಿ ಬಹಳ. ಆದರೆ
ಯಾವನಿಗೆ ಸ್ವಲ್ಪ ಮಾತ್ರ ಕ್ಷಮಿಸಲ್ಪಟ್ಟಿದೆಯೋ ಅವನು ತೋರಿಸುವ ಪ್ರೀತಿಯು ಸ್ವಲ್ಪವೇ
ಅಂದನು ೪೮ ಆ ಮೇಲೆ ಆತನು ಅವಳಿಗೆ—ನಿನ್ನ ಪಾಪಗಳು ಕ್ಷಮಿಸಲ್ಪಟ್ಟವೆ ಎಂದು ಹೇಳಿದನು.
೪೯ ಆತನ ಸಂಗಡ ಊಟಕ್ಕೆ ಒರಗಿಕೊಂಡವರು—ಪಾಪಗಳನ್ನು ಸಹ ಕ್ಷಮಿಸಿಬಿಡುವವನು
ಇವನಾರು ಎಂದು ತಮ್ಮ ತಮ್ಮೊಳಗೆ ಅಂದುಕೊಂಡರು. ೫೦ ಆದರೆ ಆತನು ಆ ಹೆಂಗಸಿಗೆ—ನಿನ್ನ
ನಂಬಿಕೆಯೇ ನಿನ್ನನ್ನು ರಕ್ಷಿಸಿ ಅದೆ; ಸಮಾಧಾನದಿಂದ ಹೋಗು ಎಂದು ಹೇಳಿದನು.

## ಯೇಸು ಸುವಾರ್ತೆಯನ್ನು ಸಾರುತ್ತಾ ಸಂಚಾರಮಾಡುವಲ್ಲಿ ಭಕ್ತರಾದ ಸ್ತ್ರೀಯರು ಸೇವೆಮಾಡಿದ್ದು

೮ ೧ ತರುವಾಯ ಆತನು ದೇವರ ರಾಜ್ಯದ ಸುವಾರ್ತೆಯನ್ನು ಸಾರುತ್ತಾ ಊರುಗಳಲ್ಲಿಯೂ
ಗ್ರಾಮಗಳಲ್ಲಿಯೂ ಸಂಚರಿಸಿದನು. ಆತನ ಸಂಗಡ ಹನ್ನೆರಡು ಮಂದಿ ಶಿಷ್ಯರೂ ಇದ್ದರು.
೨ ದೆವ್ವಗಳ ಕಾಟದಿಂದಲೂ ರೋಗಗಳಿಂದಲೂ ಗುಣಹೊಂದಿದ ಕೆಲವು ಹೆಂಗಸರು ಸಹ ಇದ್ದರು.
ಈ ಹೆಂಗಸರು ಯಾರಾಂದರೆ—ಏಳು ದೆವ್ವಗಳು ಬಿಟ್ಟುಹೋಗಿದ್ದ ಮಗ್ದಲದವಳೆಂಬ ಮರಿಯಳು,
೩ ಹೆರೋದನ ಮನೆವಾರ್ತೆಯವನಾದ ಕೂಜನ ಹೆಂಡತಿ ಯೋಹಾನಳು, ಸುಸನ್ನಳು, ಇನ್ನು ಬೇರೆ
ಅನೇಕರು. ಇವರು ತಮ್ಮ ಆಸ್ತಿಯಿಂದ ಅವನಿಗೆ ಕೊಟ್ಟು ಉಪಚಾರಮಾಡುತ್ತಿದ್ದರು.

## ಬಿತ್ತುವವನ ಸಾಮ್ಯವೂ, ಅದರ ವಿವರವೂ, ದೀಪದ ದೃಷ್ಟಾಂತವು.

(ಮತ್ತಾ. ೧೩.೧-೨೩; ಮಾರ್ಕ ೪.೧-೨೫)

೪ ಬಹುಜನರು ಗುಂಪುಕೂಡಿರುವಾಗ ಪಟ್ಟಣಪಟ್ಟಣದಿಂದ ಜನರು ಆತನ ಬಳಿಗೆ ಬರುತ್ತಿರಲು
ಆತನು ಸಾಮ್ಯರೂಪವಾಗಿ ಹೇಳಿದ್ದೇನೆಂದರೆ— ೫ ಬಿತ್ತುವವನು ಬೀಜವನ್ನು ಬಿತ್ತುವದಕ್ಕೆ
ಹೊರಟನು. ಅವನು ಬಿತ್ತುವಾಗ ಕೆಲವು ಬೀಜ ದಾರಿಯ ಮಗ್ಗುಲಲ್ಲಿ ಬಿದ್ದು ತುಳಿಯಲ್ಪಟ್ಟವು;
ಆಕಾಶದಲ್ಲಿ ಹಾರಾಡುವ ಹಕ್ಕಿಗಳು ಅವುಗಳನ್ನು ತಿಂದುಬಿಟ್ಟವು. ೬ ಬೇರೆ ಕೆಲವು ಬೀಜ ಬಂಡೆಯ
ಮೇಲೆ ಬಿದ್ದವು; ಅವು ಮೊಳೆತು ತ್ಯಾವವಿಲ್ಲದ ಕಾರಣ ಒಣಗಿಹೋದವು. ೭ ಮತ್ತೆ ಕೆಲವು ಬೀಜ
ಮುಳ್ಳುಗಿಡಗಳು ಬೆಳೆದು ಅವುಗಳನ್ನು ಅಡಗಿಸಿಬಿಟ್ಟವು. ೮ ಇನ್ನು ಕೆಲವು ಬೀಜ ಒಳ್ಳೆಯ ನೆಲಲ್ಲಿ
ಬಿದ್ದು ಮೊಳೆತು ನೂರರಷ್ಟು ಫಲವನ್ನು ಕೊಟ್ಟವು. ಈ ಮಾತುಗಳನ್ನು ಹೇಳಿ ಆತನು—ಕೇಳುವದಕ್ಕೆ
ಕಿವಿಯುಳ್ಳವನು ಕೇಳಲಿ ಎಂದು ಕೂಗಿದನು.

೯ ಆತನ ಶಿಷ್ಯರ—ಈ ಸಾಮ್ಯದ ಅರ್ಥವೇನೆಂದು ಆತನನ್ನು ಕೇಳೀದಾಗ ೧೦ ಆತನು—
ದೇವರ ರಾಜ್ಯದ ಗುಟ್ಟುಗಳನ್ನು ತಿಳಿಯುವ ವರವು ನಿಮಗೇ ಕೊಟ್ಟದೆ, ಉಳಿದವರಿಗೆ

ಕಣ್ಣಿದ್ದರೂ ನೋಡದಂತೆಯೂ, ಕಿವಿಯಿದ್ದರೂ ತಿಳುಕೊಳ್ಳದೆಂತೆಯೂ ಸಾಮ್ಯರೂಪವಾಗಿ
ಹೇಳಲಾಗುತ್ತದೆ. ೧೧ ಈ ಸಾಮ್ಯದ ಅರ್ಥವೇನಂದರೆ—ಆ ಬೀಜವಂದರೆ ದೇವರ ವಾಕ್ಯ.
೧೨ ಕೆಲವರು ವಾಕ್ಯವನ್ನು ಕೇಳಿದ ಕೂಡಲೆ ಸೈತಾನನು ಬಂದು ಅವರು ನಂಬಿ ರಕ್ಷಣೆ
ಹೊಂದಬಾರದೆಂದು ವಾಕ್ಯವನ್ನು ಅವರ ಹೃದಯದಿಂದ ತೆಗೆದುಬಿಡುತ್ತಾನೆ; ಇವರೇ ದಾರಿಯ
ಮಗ್ಗುಲಾಗಿರುವವರು. ೧೩ ಕೆಲವರು ವಾಕ್ಯವನ್ನು ಕೇಳಿದಾಗಲೇ ಅದನ್ನು ಸಂತೋಷದಿಂದ
ಅಂಗೀಕರಿಸುತ್ತಾರೆ; ಇವರಿಗೆ ಬೇರಿಲ್ಲದ ಕಾರಣ ಸ್ವಲ್ಪಕಾಲ ಮಾತ್ರವೇ ನಂಬಿಕೊಂಡಿದ್ದು
ಶೋಧನೆಯ ಕಾಲದಲ್ಲಿ ಬಿದ್ದು ಹೋಗುತ್ತಾರೆ; ಇವರೇ ಬಂಡೆಯ ನೆಲವಾಗಿರುವವರು.
೧೪ ಬೇರೆ ಕೆಲವರು ವಾಕ್ಯವನ್ನು ಕೇಳಿದ ಮೇಲೆ ಬರಬರುತ್ತಾ ಈ ಜೀವಮಾನದಲ್ಲಿ ಆಗುವ ಚಿಂತೆ
ಐಶ್ವರ್ಯ ಭೋಗಗಳಿಂದ ಅಡಗಿಸಲ್ಪಟ್ಟು ಫಲವನ್ನು ಮಾಗಿಸುವದಿಲ್ಲ; ಇವರೇ ಮುಳ್ಳುಗಿಡಗಳಲ್ಲಿ
ಬೀಜಬಿದ್ದ ನೆಲವಾಗಿರುವವರು. ೧೫ ಮತ್ತೆ ಕೆಲವರು ವಾಕ್ಯವನ್ನು ಕೇಳಿ ಸುಗುಣವುಳ್ಳ ಒಳ್ಳೆಯ
ಹೃದಯದಲ್ಲಿ ಇಟ್ಟುಕೊಂಡು ತಾಳ್ಮೆಯಿಂದ ಫಲವನ್ನು ಕೊಡುತ್ತಾರೆ; ಇವರೇ ಬೀಜ ಬಿದ್ದ ಒಳ್ಳೆಯ
ನೆಲವಾಗಿರುವವರು.

೧೬ ಇದಲ್ಲದೆ ಯಾರೂ ದೀಪವನ್ನು ಹಚ್ಚಿ ಮಡಿಕೆಯಿಂದ ಮುಚ್ಚುವದಿಲ್ಲ, ಮಂಚದ ಕೆಳಗೂ
ಇಡುವದಿಲ್ಲ; ಮನೆಯೊಳಕ್ಕೆ ಬರುವವರಿಗೆ ಬೆಳಕುಕಾಣಿಸುವಂತೆ ಅದನ್ನು ದೀಪಸ್ತಂಭದ
ಮೇಲೆ ಇಡುತ್ತಾರಷ್ಟೆ. ೧೭ ಪ್ರಕಾಶಕ್ಕೆ ಬಾರದ ಯಾವ ರಹಸ್ಯವೂ ಇಲ್ಲ; ಮತ್ತು ಗೊತ್ತಾಗದೆ ಬೈಲಿಗೆ
ಬಾರದೆ ಇರುವಂಥ ಗುಟ್ಟು ಒಂದೂ ಇಲ್ಲ. ೧೮ ಆದದರಿಂದ ನೀವು ಹೇಗೆ ಕಿವಿಗೊಡಬೇಕೋ
ನೋಡಿಕೊಳ್ಳಿರಿ; ಯಾಕಂದರೆ ಇದ್ದವನಿಗೆ ಕೊಡಲ್ಪಡುವದು; ಇಲ್ಲದವನ ಕಡೆಯಿಂದ ಅವನು
ತನ್ನದೆಂದು ಎಣಿಸುವಂಥದೂ ತೆಗೆಯಲ್ಪಡುವದು ಅಂದನು.

### ದೇವರ ಚಿತ್ತವನ್ನು ಅನುಸರಿಸುವವರೇ ತನ್ನ ಸಂಬಂಧಿಕರೆಂದು ಯೇಸು ಹೇಳಿದ್ದು.

(ಮತ್ತಾ. ೧೨.೪೬-೫೦; ಮಾರ್ಕ ೩.೩೧-೩೩)

೧೯ ಆತನ ತಾಯಿಯೂ ತಮ್ಮಂದಿರೂ ಆತನಿದ್ದಲ್ಲಿಗೆ ಬಂದು ಜನರ ಗುಂಪಿನ ನಿಮಿತ್ತ ಆತನ
ಬಳಿಗೆ ಸೇರಲಾರದೆ ಇದ್ದರು. ೨೦ ಜನರು ಆತನಿಗೆ—ನಿನ್ನ ತಾಯಿಯೂ ನಿನ್ನ ಅಣ್ಣತಮ್ಮಂದಿರೂ
ನಿನ್ನನ್ನು ಕಾಣಬೇಕೆಂದು ಹೊರಗೆ ನಿಂತಿರುತ್ತಾರೆ ಎಂದು ಹೇಳಿದಾಗ ೨೧ ಆತನು ಅವರಿಗೆ—
ಯಾರು ದೇವರ ವಾಕ್ಯವನ್ನು ಕೇಳಿ ಅದರಂತೆ ನಡೆಯುತ್ತಾರೋ ಅವರೇ ನನಗೆ ತಾಯಿಯೂ
ಅಣ್ಣತಮ್ಮಂದಿರೂ ಆಗಬೇಕು ಎಂದು ಉತ್ತರಕೊಟ್ಟನು.

### ಯೇಸು ಸಮುದ್ರದ ಮೇಲಣ ಬಿರುಗಾಳಿಯನ್ನು ನಿಲ್ಲಿಸಿದ್ದು.

(ಮತ್ತ. ೮.೧೮,೨೩-೨೭; ಮಾರ್ಕ ೪.೩೫-೪೧)

೨೨ ಒಂದಾನೊಂದು ದಿನದಲ್ಲಿ ಆತನು ತನ್ನ ಶಿಷ್ಯರ ಸಂಗಡ ಒಂದು ದೋಣಿಯನ್ನು ಹತ್ತಿ
ಕೆರೆಯ ಆಚೇ ದಡಕ್ಕೆ ಹೋಗೋಣ ಎಂದು ಅವರಿಗೆ ಹೇಳಲು ಅವರು ದೋಣಿಯನ್ನು
ನೀರಿನೊಳಗೆ ನೂಕಿ ಹೊರಟರು. ೨೩ ಅವರು ಹೋಗುತ್ತಿರುವಾಗ ಆತನಿಗೆ ನಿದ್ರೆಹತ್ತಿತು;
ಅಷ್ಟರಲ್ಲಿ ಬಿರುಗಾಳಿ ಕೆರೆಯ ಮೇಲೆ ಬರಲು ದೋಣಿಯೊಳಗೆ ನೀರು ತುಂಬಿಕೊಂಡದರಿಂದ
ಅವರು ಅಪಾಯಕ್ಕೆ ಗುರಿಯಾದರು. ೨೪ ಹೀಗಿರಲಾಗಿ ಅವರು ಆತನ ಹತ್ತರ ಬಂದು—ಗುರುವೇ,
ಗುರುವೇ, ಸಾಯುತ್ತೇವೆ ಎಂದು ಹೇಳಿ ಆತನನ್ನು ಎಬ್ಬಿಸಿದರು. ಆಗ ಆತನು ಎದ್ದು ಗಾಳಿಯನ್ನೂ
ಉಬ್ಬುವ ನೀರನ್ನೂ ಗದರಿಸಿದನು. ಗದರಿಸಲು ಅವು ನಿಂತವು, ಶಾಂತವಾಯಿತು. ೨೫ ತರುವಾಯ
ಆತನು—ನಿಮ್ಮ ನಂಬಿಕೆ ಎಲ್ಲಿ? ಎಂದು ಅವರನ್ನು ಕೇಳಿದನು. ಅವರಾದರೋ ಭಯಪಟ್ಟು—
ಈತನು ಯಾರಿರಬಹುದು? ಗಾಳಿಗೂ ನೀರಿಗೂ ಅಪ್ಪಣೆ ಕೊಡುತ್ತಾನೆ; ಅವು ಕೂಡ ಹೇಳಿದ ಹಾಗೆ
ಕೇಳುತ್ತವಲ್ಲಾ ಎಂದು ಒಬ್ಬರಿಗೊಬ್ಬರು ಮಾತಾಡಿಕೊಂಡು ಆಶ್ಚರ್ಯಪಟ್ಟರು.

### ದೆವ್ವಗಳ ದಂಡಿನಿಂದ ಹಿಡಿಯಲ್ಪಟ್ಟವನನ್ನು ಕುರಿತದ್ದು

(ಮತ್ತಾ. ೮.೨೪-೩೪; ಮಾರ್ಕ ೫.೧-೨೦)

೨೬ ಆ ಮೇಲೆ ಅವರು ಗಲಿಲಾಯಕ್ಕೆ ಎದುರಾಗಿರುವ ಗೆರಸೇನರ ಸೀಮೆಗೆ ಮುಟ್ಟಿದರು.
೨೭ ಆತನು ದಡಕ್ಕೆ ಇಳಿಯುತ್ತಲೇ ಆ ಊರಿನವನಾದ ಒಬ್ಬ ಮನುಷ್ಯನು ಆತನೆದುರಿಗೆ ಬಂದನು.
ಅವನಿಗೆ ದೆವ್ವಗಳು ಹಿಡಿದಿದ್ದವು. ಬಹುಕಾಲದಿಂದ ಬಟ್ಟೆಯನ್ನೇ ಹಾಕಿಕೊಳ್ಳದೆ ಯಾವ
ಮನೆಯಲ್ಲಿಯೂ ಇರದೆ ಸಮಾಧಿಯ ಗವಿಗಳಲ್ಲಿಯೇ ಇರುತ್ತಿದ್ದನು. ೨೮ ಇವನು ಯೇಸುವನ್ನು

ಕಂಡು ಆರ್ಭಟಿಸಿ ಆತನ ಮುಂದೆಬಿದ್ದು ಮಹಾಶಬ್ದದಿಂದ—ಯೇಸುವೇ, ಪರಾತ್ಪರನಾದ ದೇವರ
ಮಗನೇ, ನನ್ನ ಗೊಡವೆ ನಿನಗೇಕೆ? ನನ್ನನ್ನು ಕಾಡಬೇಡವೆಂತ ನಿನ್ನನ್ನು ಬೇಡಿಕೊಳ್ಳುತ್ತೇನೆ
ಅಂದನು. ೨೯ ಯಾಕಂದರೆ—ಈ ಮನುಷ್ಯನನ್ನು ಬಿಟ್ಟುಹೋಗಬೇಕೆಂದು ಆತನು ಆ ದೆವ್ವಕ್ಕೆ
ಅಪ್ಪಣೆ ಕೊಟ್ಟಿದ್ದನು. ಅದು ಬಹು ಕಾಲದಿಂದ ಅವನನ್ನು ಹಿಡಿದಿತ್ತು; ಇದಲ್ಲದೆ ಅವನನ್ನು
ಕಾವಲಲ್ಲಿಟ್ಟು ಸರಪಣಿಗಳಿಂದಲೂ ಬೇಡಿಗಳಿಂದಲೂ ಕಟ್ಟಿದ್ದರೂ ಅವನು ಆ ಬಂಧಗಳನ್ನು
ಮುರಿದುಹಾಕುತ್ತಿದ್ದನು; ಮತ್ತು ಆ ದೆವ್ವ ಅವನನ್ನು ಅರಣ್ಯಪ್ರದೇಶಗಳಿಗೆ ಓಡಿಸುತ್ತಿತ್ತು.
೩೦ ಯೇಸು—ನಿನ್ನ ಹೆಸರೇನೆಂದು ಅವನನ್ನು ಕೇಳಿದ್ದಕ್ಕೆ ಅವನು—ನನ್ನ ಹೆಸರು ದಂಡು ಅಂದನು;
ಯಾಕಂದರೆ ಬಹಳ ದೆವ್ವಗಳು ಅವನೊಳಗೆ ಹೊಕ್ಕಿದ್ದವು. ೩೧ ಪಾತಾಳಕ್ಕೆ ಹೋಗಿಬಿಡುವಂತೆ
ನಮಗೆ ಆಜ್ಞೆಮಾಡಬೇಡವೆಂದು ಅವು ಆತನನ್ನು ಬೇಡಿಕೊಂಡವು. ೩೨ ಅಲ್ಲಿಯ ಗುಡ್ಡದಲ್ಲಿ
ಬಹಳ ಹಂದಿಗಳ ಒಂದು ಹಿಂಡು ಮೇಯುತ್ತಿತ್ತು. ಆ ದೆವ್ವಗಳು—ಆ ಹಂದಿಗಳೊಳಗೆ ಸೇರಿ
ಕೊಳ್ಳುವದಕ್ಕೆ ನಮಗೆ ಅಪ್ಪಣೆಯಾಗಬೇಕೆಂದು ಆತನನ್ನು ಬೇಡಿಕೊಂಡವು. ೩೩ ಆತನು ಆಗಲಿ
ಎಂದು ಅವುಗಳಿಗೆ ಅಪ್ಪಣೆಕೊಡಲು ದೆವ್ವಗಳು ಆ ಮನುಷ್ಯನೊಳಗಿಂದ ಹೊರಗೆ ಬಂದು
ಹಂದಿಗಳೊಳಗೆ ಹೊಕ್ಕವು; ಆ ಗುಂಪು ಓಡಿ ಕಡಿದಾದ ಸ್ತಳದಿಂದ ಕೆರೆಯೊಳಗೆ ಬಿದ್ದು
ಉಸುರುಕಟ್ಟಿ ಸತ್ತಿತು. ೩೪ ಮೇಯಿಸುವವರು ನಡೆದದ್ದನ್ನು ಕಂಡು ಓಡಿಹೋಗಿ ಆ ಊರಲ್ಲಿಯೂ
ಹಳ್ಳಿಗಳಲ್ಲಿಯೂ ಅದನ್ನು ತಿಳಿಸಲು ೩೫ ಜನರು ನಡೆದ ಸಂಗತಿಯನ್ನು ನೋಡುವದಕ್ಕೆ ಹೊರಟು
ಯೇಸುವಿದ್ದಲ್ಲಿಗೆ ಬಂದು ದೆವ್ವಗಳು ಬಿಟ್ಟುಹೋಗಿದ್ದ ಆ ಮನುಷ್ಯನು ಬಟ್ಟೆಗಳನ್ನು ಹಾಕಿಕೊಂಡು
ಸ್ವಸ್ಥಬುದ್ಧಿಯಿಂದ ಯೇಸುವಿನ ಪಾದಗಳ ಬಳಿಯಲ್ಲಿ ಕೂತಿರುವದನ್ನು ಕಂಡು ಹೆದರಿದರು.
೩೬ ನಡೆದ ಸಂಗತಿಯನ್ನು ನೋಡಿದ್ದವರು ಆ ದೆವ್ವಹಿಡಿದಿದ್ದವನಿಗೆ ಬಿಡುಗಡೆಯಾದ
ರೀತಿಯನ್ನು ಅವರಿಗೆ ತಿಳಿಸಲು ೩೭ ಗೆರಸೇನರ ಸುತ್ತಲಿರುವ ಸೀಮೆಯವರಿಗೆಲ್ಲಾ ಮಹಾ
ಭಯಹಿಡಿದದ್ದರಿಂದ ಅವರು ಯೇಸಯವನ್ನು—ನೀನು ನಮ್ಮನ್ನು ಬಿಟ್ಟುಹೋಗಬೇಕೆಂದು
ಬೇಡಿಕೊಂಡರು. ೩೮ ಆತನು ದೋಣಿಯನ್ನು ಹತ್ತಿ ಹಿಂತಿರುಗಿ ಹೋದನು. ಹೊರಡುವಾಗ
ದೆವ್ವಗಳಿಂದ ಬಿಡುಗಡೆಯಾದ ಆ ಮನುಷ್ಯನು—ನಾನು ನಿನ್ನ ಬಳಿಯಲ್ಲಿಯೇ ಇರುತ್ತೇನೆ
ಎಂದು ಆತನನ್ನು ಬೇಡಿಕೊಂಡಾಗ ೩೯ ಆತನು—ನೀನು ನಿನ್ನ ಮನೆಗೆ ಹಿಂತಿರುಗಿ ಹೋಗಿ
ದೇವರು ನಿನಗೆ ಎಂಥೆಂಥ ಉಪಕಾರಗಳನ್ನು ಮಾಡಿದನೋ ಅದನ್ನೆಲ್ಲಾ ವಿವರವಾಗಿ ಹೇಳು
ಎಂದು ಅವನನ್ನು ಕಳುಹಿಸಿಬಿಟ್ಟನು. ಅವನು ಹೊರಟುಹೋಗಿ ಯೇಸು ತನಗೆ ಮಾಡಿದ
ಉಪಕಾರಗಳನ್ನು ಆ ಊರಲ್ಲೆಲ್ಲಾ ಸಾರಿದನು.

### ಯೇಸು ಸತ್ತಹುಡುಗಿಯನ್ನು ಬದುಕಿಸಿದ್ದು; ಮತ್ತು ಒಬ್ಬ ಸ್ತ್ರೀಯ ರಕ್ತಕುಸುಮರೋಗವನ್ನು ವಾಸಿಮಾಡಿದ್ದು.

(ಮತ್ತಾ. ೯.೧೮-೨೬; ಮಾರ್ಕ ೫.೨೧-೪೩)

೪೦ ಯೇಸು ಹಿಂತಿರುಗಿ ಬಂದಾಗ ಜನರೆಲ್ಲರೂ ಆತನನ್ನು ಕಾದುಕೊಂಡಿದ್ದು ಸಂತೋಷದಿಂದ
ಸ್ವೀಕರಿಸಿದರು. ೪೧-೪೨ ಆಗ ಸಭಾಮಂದಿರದ ಅಧಿಕಾರಿಯಾದ ಯಾಯೀರನೆಂಬ ಒಬ್ಬ
ಮನುಷ್ಯನು ಬಂದು ಯೇಸುವಿನ ಪಾದಗಳಿಗೆ ಬಿದ್ದನು. ಹೆಚ್ಚುಕಡಿಮೆ ಹನ್ನೆರಡು ವರುಷದವಳಾದ
ಅವನ ಒಬ್ಬಳೇ ಮಗಳು ಸಾಯುವವಳಾಗಿದ್ದ ಕಾರಣ ಆತನನ್ನು ತನ್ನ ಮನೆಗೆ ಬರಬೇಕೆಂದು
ಬೇಡಿಕೊಂಡನು. ಆತನು ಹೋಗುತ್ತಿರುವಲ್ಲಿ ಜನರು ಗುಂಪುಗುಂಪಾಗಿ ಆತನನ್ನು ಇರಿಕಿಸುತ್ತಿದ್ದರು.
೪೩ ಆಗ ಹನ್ನೆರಡು ವರುಷದಿಂದ ರಕ್ತಕುಸುಮರೋಗವಿದ್ದ ಒಬ್ಬ ಹೆಂಗಸು ಬಂದಳು. ೪೪ ಆಕೆಯು
ಒಬ್ಬರಿಂದಲೂ ಗುಣಹೊಂದಲಾರದೆ ಇದ್ದಳು. ಆಕೆಯು ಹಿಂದಿನಿಂದ ಬಂದು ಆತನ ಉಡುಪಿನ
ಗೊಂಡೆಯನ್ನು ಮುಟ್ಟಿದಳು; ಮುಟ್ಟುತ್ತಲೇ ಆಕೆಗೆ ರಕ್ತಹರಿಯುವದು ನಿಂತಿತು. ೪೫ ಆಗ
ಯೇಸು—ನನ್ನನ್ನು ಮುಟ್ಟಿದವರಾರು ಎಂದು ಕೇಳಿದನು. ಎಲ್ಲರು—ನಾನಲ್ಲ ನಾನಲ್ಲ ಅನ್ನಲು
ಪೇತ್ರನು—ಗುರುವೇ ಎಷ್ಟೋ ಜನರು ನಿನ್ನನ್ನು ಒತ್ತೊತ್ತಿ ಮೈಮೇಲೆ ಬೀಳುತ್ತಿದ್ದಾರಲ್ಲಾ
ಅಂದನು. ೪೬ ಆದರೆ ಯೇಸು—ಯಾರೋ ಒಬ್ಬರು ನನ್ನನ್ನು ಮುಟ್ಟಿದರು; ನನ್ನಿಂದ ಶಕ್ತಿಯು
ಹೊರಟಿತೆಂಬದು ನನಗೆ ಗೊತ್ತಾಯಿತು ಅಂದಾಗ ೪೭ ಆ ಹೆಂಗಸು ತಾನು ಮರೆಯಾಗಿಲ್ಲವೆಂತ
ತಿಳಿದು ನಡುಗುತ್ತಾ ಬಂದು ಆತನಿಗೆ ಅಡ್ಡಬಿದ್ದು ತಾನು ಇಂಥ ಕಾರಣದಿಂದ ಈತನನ್ನು
ಮುಟ್ಟಿದೆನೆಂತಲೂ ಮುಟ್ಟಿದ ಕೂಡಲೆ ತನಗೆ ವಾಸಿಯಾಯಿತೆಂತಲೂ ಎಲ್ಲಾ ಜನರ ಮುಂದೆ
ತಿಳಿಸಿದಳು. ೪೮ ಆತನು ಆಕೆಗೆ—ಮಗಳೇ ನಿನ್ನ ನಂಬಿಕೆಯೇ ನಿನ್ನನ್ನು ಸ್ವಸ್ಥಮಾಡಿತು;
ಸಮಾಧಾನದಿಂದ ಹೋಗು ಎಂದು ಹೇಳಿದನು.

೪೯ ಆತನು ಇನ್ನೂ ಮಾತಾಡುತ್ತಿರುವಲ್ಲಿ ಸಭಾಮಂದಿರದ ಅಧಿಕಾರಿಯ ಕಡೆಯವನೊಬ್ಬನು
ಬಂದು—ನಿನ್ನ ಮಗಳು ಸತ್ತಳು; ಗುರುವಿಗೆ ತೊಂದರೆ ಕೊಡಬೇಡ ಅಂದನು. ೫೦ ಆದರೆ
ಯೇಸು ಅದನ್ನು ಕೇಳಿ ಅವನಿಗೆ—ಅಂಜಬೇಡ, ನಂಬಿಕೆ ಮಾತ್ರ ಇರಲಿ, ಆಕೆ ಬದುಕುವಳು
ಎಂದು ಉತ್ತರಕೊಟ್ಟನು. ೫೧ ತರುವಾಯ ಆತನು ಆ ಮನೆಗೆ ಹೋಗಿ ಪೇತ್ರನು ಯೋಹಾನನು
ಯಾಕೋಬನು ಆ ಹುಡುಗಿಯ ತಂದೆತಾಯಿಗಳು ಇಷ್ಟು ಮಂದಿಯನ್ನೇ ಹೊರತು ಬೇರೆ
ಯಾರನ್ನೂ ತನ್ನ ಸಂಗಡ ಒಳಕ್ಕೆ ಬರಗೊಡಲಿಲ್ಲ. ೫೨ ಎಲ್ಲರು ಅಳುತ್ತಾ ಆಕೆಗೋಸ್ಕರ
ಎದೆಬಡುಕೊಳ್ಳುತ್ತಾ ಇದ್ದರು. ಯೇಸು—ಅಳಬೇಡಿರಿ, ಆಕೆ ಸತ್ತಿಲ್ಲ, ನಿದ್ದೆಮಾಡುತ್ತಾಳೆ
ಅನ್ನಲಾಗಿ ೫೩ ಜನರು ಆಕೆ ಸತ್ತಳೆಂದು ತಿಳಿದುಕೊಂಡಿದರಿಂದ ಆತನನ್ನು ಹಾಸ್ಯಮಾಡಿದರು.
೫೪ ಆದರೆ ಆತನು ಆಕೆಯ ಕೈ ಹಿಡಿದು—ಅಮ್ಮಣ್ಣೀ, ಏಳು ಎಂದು ಕೂಗಿದನು. ೫೫ ಆಕೆಯ
ಪ್ರಾಣ ತಿರಿಗಿ ಬಂದು ತಕ್ಷಣವೇ ಆಕೆ ಎದ್ದಳು. ತರುವಾಯ ಆತನು—ಈಕೆಗೆ ಊಟಮಾಡಿಸಿರಿ
ಎಂದು ಅಪ್ಪಣೆಕೊಟ್ಟನು. ೫೬ ಆಕೆಯ ತಂದೆತಾಯಿಗಳು ಬೆರಗಾದರು. ಆತನು—ಈ ನಡೆದ
ಸಂಗತಿಯನ್ನು ಯಾರಿಗೂ ತಿಳಿಸಬೇಡಿರೆಂದು ಖಂಡಿತವಾಗಿ ಹೇಳಿದನು.

### ಯೇಸು ಹನ್ನೆರಡು ಮಂದಿ ಶಿಷ್ಯರನ್ನು ಸುವಾರ್ತೆ ಸಾರುವದಕ್ಕೆ ಕಳುಹಿಸಿದ್ದು.

(ಮತ್ತಾ. ೧೦.೧,೫-೧೪; ಮಾರ್ಕ ೬.೭-೧೩)

೯ ೧ ಆತನು ಹನ್ನೆರಡು ಮಂದಿ ಶಿಷ್ಯರನ್ನು ಒಟ್ಟಿಗೆ ಕರೆದು ಅವರಿಗೆ ಎಲ್ಲಾ ದೆವ್ವಗಳನ್ನು
ಬಿಡಿಸುವ ಮತ್ತು ರೋಗಗಳನ್ನು ವಾಸಿಮಾಡುವ ಶಕ್ತಿ ಅಧಿಕಾರಗಳನ್ನು ಕೊಟ್ಟು
೨ ದೇವರ ರಾಜ್ಯದ ವಿಷಯವನ್ನು ಸಾರುವದಕ್ಕೂ ಅಸ್ವಸ್ಥರಾದವರನ್ನು ಸ್ವಸ್ಥಮಾಡುವದಕ್ಕೂ
ಅವರನ್ನು ಕಳುಹಿಸಿದನು. ೩ ಕಳುಹಿಸುವಾಗ ಅವರಿಗೆ ಹೇಳಿದ್ದೇನಂದರೆ—ದಾರಿಗೆ ಏನೂ
ತಕ್ಕೊಂಡುಹೋಗಬೇಡಿರಿ, ಕೋಲು ಹಸಿಬೆ ಬುತ್ತಿ ಹಣ ಬೇಡ; ಎರಡಂಗಿಗಳಿರಬಾರದು.
೪ ಇದಲ್ಲದೆ ನೀವು ಯಾವ ಮನೆಯಲ್ಲಿ ಇಳುಕೊಂಡರೂ ಅಲ್ಲೇ ಇರ್ರಿ, ಅಲ್ಲಿಂದಲೇ ಹೊರಡಿರಿ.
೫ ಮತ್ತು ಯಾವ ಊರಿನವರಾದರೂ ನಿಮ್ಮನ್ನು ಸೇರಿಸಿ ಕೊಳ್ಳದೆ ಹೋದರೆ ಆ ಊರನ್ನು ನೀವು
ಬಿಟ್ಟುಹೊರಡುವಾಗ ನಿಮ್ಮ ಕಾಲಿಗೆ ಹತ್ತಿದ ಧೂಳನ್ನು ಝಾಡಿಸಿಬಿಡಿರಿ; ಅದು ಅವರಿಗೆ
ವಿರೋಧವಾಗಿ ಸಾಕ್ಷಿಯಾಗಿರಲಿ ಅಂದನು. ೬ ಆಗ ಅವರು ಹೊರಟುಹೋಗಿ ಎಲ್ಲೆಲ್ಲಿಯೂ
ಸುವಾರ್ತೆಯನ್ನು ಸಾರುತ್ತಾ ರೋಗಿಗಳಿಗೆ ವಾಸಿಮಾಡುತ್ತಾ ಗ್ರಾಮಗಳಲ್ಲೆಲ್ಲಾ ಸಂಚರಿಸಿದರು.
೭ ಹೀಗರಲಾಗಿ ಉಪರಾಜನಾದ ಹೆರೋದನು ನಡೆದ ಸಂಗತಿಗಳನ್ನೆಲ್ಲಾ ಕೇಳಿ ಬಹಳವಾಗಿ
ಕಳವಳಪಡುವವನಾದನು. ಯಾಕಂದರೆ ಸತ್ತಿದ್ದ ಯೋಹಾನನು ತಿರಿಗಿ ಬದುಕಿಬಂದಿದ್ದಾನೆಂದು
ಕೆಲವರೂ, ಎಲೀಯನು ಕಾಣಿಸಿಕೊಂಡನೆಂಉ ಕೆಲವರೂ, ೮ ಪೂರ್ವದ ಪ್ರವಾದಿಗಳಲ್ಲಿ
ಯಾವನೋ ಒಬ್ಬನು ಎದ್ದಿದ್ದಾನೆಂದು ಕೆಲವರೂ ಹೇಳಿಕೊಳ್ಳುತ್ತಿದ್ದರು. ೯ ಆದರೆ ಹೆರೋದನು—
ಯೋಹಾನನನ್ನು ನಾನೇ ತಲೆಹೊಯ್ಸಿದೆನಷ್ಟೆ. ಇವನಾರು? ಇವನ ವಿಷಯವಾಗಿ
ಆಶ್ಚರ್ಯಕರವಾದ ಸಂಗತಿಗಳನ್ನು ಕೇಳುತ್ತೇನಲ್ಲಾ ಎಂದು ಹೇಳಿ ಅವನನ್ನು ನೋಡಬೇಕೆಂದು
ಪ್ರಯತ್ನಿಸಿದನು.

### ಯೇಸು ಐದು ಸಾವಿರ ಜನರಿಗೆ ಊಟಮಾಡಿಸಿದ್ದು.

(ಮತ್ತಾ. ೧೪.೧೮-೨೧; ಮಾರ್ಕ ೬.೩೦-೪೪; ಯೋಹಾ. ೬.೧-೧೩)

೧೦ ಇತ್ತಲಾಗಿ ಅಪೊಸ್ತಲರು ಹಿಂತಿರುಗಿ ಬಂದು ತಾವು ಮಾಡಿದ್ದನ್ನೆಲ್ಲ ಾಯೇಸುವಿಗೆ
ವಿವರವಾಗಿ ಹೇಳಲು ಆತನು ಅವರನ್ನು ಬೇತ್ಸಾಯಿದವೆಂಬ ಊರಿಗೆ ವಿಂಗಡವಾಗಿ
ಕರಕೊಂಡುಹೋದನು. ೧೧ ಆದರೆ ಜನರ ಗುಂಪು ಇದನ್ನು ತಿಳಿದು ಆತನ ಹಿಂದೆ ಹೋಗಲು
ಆತನು ಅವರನ್ನು ಪ್ರೀತಿಯಿಂದ ಸ್ವೀಕರಿಸಿ ದೇವರ ರಾಜ್ಯದ ವಿಷಯವಾಗಿ ಅವರ ಸಂಗಡ
ಮಾತಾಡಿ ಕ್ಷೇಮ ಬೇಕಾದವರಿಗೆ ವಾಸಿಮಾಡಿದನು. ೧೨ ಹೊತ್ತು ಇಳಿಯೂತ್ತಾ ಬತು. ಆ
ಹನ್ನೆರಡು ಮಂದಿ ಶಿಷ್ಯರು ಆತನ ಬಳಿಗೆ ಬಂದು—ಈ ಗುಂಪಿಗೆ ಅಪ್ಪಣೆಕೊಡು; ಇವರು
ಸುತ್ತಲಿರುವ ಹಳ್ಳಿಪಳ್ಳಿಗಳಿಗೆ ಹೋಗಿ ಇಳುಕೊಂಡು ಊಟಕ್ಕೆ ಬೇಕಾದ ಪದಾರ್ಥಗಳನ್ನು
ದೊರಕಿಸಿಕೊಳ್ಳಲಿ; ನಾವು ಇಲ್ಲಿ ಅಡವಿಯ ಸ್ಥಳದಲ್ಲಿ ಇದ್ದೇವಲ್ಲಾ ಎಂದು ಆತನಿಗೆ ಹೇಳಾಗಿ
೧೩ ಆತನು—ನೀವೇ ಅವರಿಗೆ ಊಟಕ್ಕೆ ಕೊಡಿರಿ ಅಂದನು. ಅದಕ್ಕವರು—ನಮ್ಮಲ್ಲಿ ಐದು ರೊಟ್ಟಿ
ಎರಡು ಮೀನು ಹೊರತು ಹೆಚ್ಚೇನೂ ಇಲ್ಲ; ನಾವು ಹೋಗಿ ಈ ಜನರಿಗೆಲ್ಲಾ ಆಹಾರವನ್ನು ಕೊಂಡು
ಕೊಳ್ಳಬೇಕೋ? ಅಂದರು. ೧೪ ಗಂಡಸರೇ ಹೆಚ್ಚು ಕಡಿಮೆ ಐದು ಸಾವಿರ ಮಂದಿಯಿದ್ದರು.

ಆಗ ಆತನು ತನ್ನ ಶಿಷ್ಯರಿಗೆ—ಇವರನ್ನು ಒಂದೊಂದು ಪಙ್ತಿಗೆ ಹೆಚ್ಚುಕಡಿಮೆ ಐವತ್ತೈವತ್ತರಂತೆ
ಕೂಡ್ರಿಸಿರಿ ಎಂದು ಹೇಳಲು ೧೫ ಅವರು ಹಾಗೆಯೇ ಎಲ್ಲರನ್ನೂ ಕೂಡ್ರಿಸಿದರು. ೧೬ ಆ ಮೇಲೆ
ಆತನು ಆ ಐದು ರೊಟ್ಟಿ ಎರಡು ಮೀನುಗಳನ್ನು ತೆಗೆದುಕೊಂಡು ಆಕಾಶದ ಕಡೆಗೆ ನೋಡಿ
ಅವುಗಳನ್ನು ಆಶೀರ್ವದಿಸಿ ಮುರಿದು ಶಿಷ್ಯರ ಕೈಗೆ ಕೊಟ್ಟು—ಈ ಜನರ ಗುಂಪಿಗೆ ಹಂಚಿರಿ
ಅಂದನು. ೧೭ ಅವರೆಲ್ಲರು ಊಟಮಾಡಿ ತೃಪ್ತರಾದರು; ಉಳಿದ ತುಂಡುಗಳನ್ನು ಕೂಡಿಸಲಾಗಿ ಅವು
ಹನ್ನೆರಡು ಪುಟ್ಟಿ ಆದವು.

### ಪೇತ್ರನು ಯೇಸುವನ್ನು ಕ್ರಿಸ್ತನೆಂದು ಅರಿಕೆಮಾಡಿದ್ದು;<br>ಯೇಸು ತನ್ನ ಮರಣವನ್ನು ಮುಂತಿಳಿಸಿದ್ದು.

(ಮತ್ತಾ. ೧೬.೧೩-೨೮; ಮಾರ್ಕ ೮.೨೭-೯.೧)

೧೮ ಒಂದಾನೊಂದು ದಿವಸ ಆತನು ಏಕಾಂತವಾಗಿ ಪ್ರಾರ್ಥನೆಮಾಡುತ್ತಿರುವಾಗ ಆತನ ಶಿಷ್ಯರು
ಆತನ ಸಂಗಡ ಇದ್ದರು. ಆನು—ನನ್ನನ್ನು ಸಾಮಾನ್ಯ ಜನರು ಯಾರು ಅನ್ನುತ್ತಾರೆ ಎಂದು ಅವರನ್ನು
ಕೇಳಿದ್ದಕ್ಕೆ ಅವರು— ೧೯ ನಿನ್ನನ್ನು ಸ್ನಾನಿಕನಾದ ಯೋಹಾನನು ಅನ್ನುತ್ತಾರೆ; ಕೆಲವರು
ಎಲೀಯನು ಅನ್ನುತ್ತಾರೆ; ಇನ್ನು ಕೆಲವರು ಪೂರ್ವದ ಪ್ರವಾದಿಗಳಲ್ಲಿ ಯಾವನೋ ಒಬ್ಬನು
ಎದ್ದಿದ್ದಾನೆ ಅನ್ನುತ್ತಾರೆ ಎಂದು ಹೇಳಿದರು. ೨೦ ಆತನು ಅವರನ್ನು—ಆದರೆ ನೀವು ನನ್ನನ್ನು ಯಾರು
ಅನ್ನುತ್ತೀರಿ ಎಂದು ಕೇಳಲಾಗಿ ಪೇತ್ರನು—ನೀನು ದೇವರಿಂದ ಬರಬೇಕಾಕಿರುವ ಕ್ರಿಸ್ತನು
ಎಂದು ಉತ್ತರ ಕೊಟ್ಟನು. ೨೧ ಆಗ ಆತನು—ಇದನ್ನು ಯಾರಿಗೂ ಹೇಳಬೇಡಿರಿ ಎಂದು ಬಹು
ಖಂಡಿತವಾಗಿ ಅವರಿಗೆ ಅಪ್ಪಣೆ ಕೊಟ್ಟು— ೨೨ ಮನುಷ್ಯಕುಮಾರನು ಬಹು ಕಷ್ಟಗಳನ್ನನುಭವಿಸಿ
ಹಿರಿಯರಿಂದಲೂ ಮಹಾಯಾಜಕರಿಂದಲೂ ಶಾಸ್ತ್ರಿಗಳಿಂದಲೂ ನಿರಾಕೃತನಾಗಿ ಕೊಲ್ಲಲ್ಪಟ್ಟು
ಮೂರನೆಯ ದಿನದಲ್ಲಿ ಜೀವಿತನಾಗಿ ಎಬ್ಬಿಸಲ್ಪಡಬೇಕಾಗಿದೆ ಎಂದು ಹೇಳಿದನು. ೨೩ ಇದಲ್ಲದೆ
ಅತನು ಎಲ್ಲರಿಗೂ ಹೇಳಿದ್ದೇನಂದರೆ—ಯಾವನಿಗಾದರೂ ನನ್ನ ಹಿಂದೆ ಬರುವದಕ್ಕೆ ಮನಸ್ಸಿದ್ದರೆ
ಅವನು ತನ್ನನ್ನು ನಿರಾಕರಿಸಿ ತನ್ನ ತಿಲುಬೆಯನ್ನು ದಿನಾಲೂ ಹೊತ್ತು ಕೊಂಡು ನನ್ನ ಹಿಂದೆ
ಬರಲಿ. ೨೪ ತನ್ನ ಪ್ರಾಣವನ್ನು ಉಳಿಸಿಕೊಳ್ಳಬೇಕೆಂದಿರುವವನು ಅದನ್ನು ಕಳಕೊಳ್ಳುವನು;
ಆದರೆ ನನ್ನ ನಿಮಿತ್ತವಾಗಿ ತನ್ನ ಪ್ರಾಣವನ್ನು ಕಳಕೊಂಡವನು ಅದನ್ನು ಉಳಿಸಿಕೊಳ್ಳುವನು.
೨೫ ಒಬ್ಬ ಮನುಷ್ಯನು ಲೋಕವನ್ನೆಲ್ಲಾ ಸಂಪಾದಿಸಿಕೊಂಡರೂ ತನ್ನನ್ನೇ ಕೆಡಿಸಿಕೊಂಡರೆ
ಅಥವಾ ನಷ್ಟಪಡಿಸಿಕೊಂಡರೆ ಅವನಿಗೆ ಪ್ರಯೋಜನವೇನು? ೨೬ ಯಾವನು ನನಗೂ ನನ್ನ
ಮಾತುಗಳಿಗೂ ನಾಚಿಕೊಳ್ಳುತ್ತಾನೋ ಅವನಿಗೆ ಮನುಷ್ಯಕುಮಾರನು ತನಗೂ ತನ್ನ ತಂದೆಗೂ
ಪರಿಶುದ್ಧ ದೂತರಿಗೂ ಇರುವ ಪ್ರಭಾವದೊಡನೆ ಬರುವಾಗ ನಾಚಿಕೊಳ್ಳುವನು. ೨೭ ನಿಮಗೆ
ಸತ್ಯವಾಗಿ ಹೇಳುತ್ತೇನೆ, ಇಲ್ಲಿ ನಿಂತಿರುವವರೊಳಗೆ ಕೆಲವರು ದೇವರ ರಾಜ್ಯವನ್ನು ನೋಡುವ
ತನಕ ಮರಣಹೊಂದುವದಿಲ್ಲವೆಂದು ಅಂದನು.

### ಯೇಸು ಪ್ರಕಾಶರೂಪದಿಂದ ಕಾಣಿಸಿಕೊಂಡದ್ದು.

(ಮತ್ತಾ. ೧೭.೧-೧೮; ಮಾರ್ಕ ೯.೨-೮)

೨೮ ಯೇಸು ಈ ಮಾತುಗಳನ್ನು ಕೇಳಿ ಸುಮಾರು ಎಂಟು ದಿವಸಗಳಾದ ಮೇಲೆ
ಪೇತ್ರ ಯೋಹಾನ ಯಾಕೋಬರನ್ನು ಕರಕೊಂಡು ಪ್ರಾರ್ಥನೆಮಾಡುವದಕ್ಕೆ ಬೆಟ್ಟವನ್ನು
ಹತ್ತಿದನು. ೨೯ ಆತನು ಪ್ರಾರ್ಥನೆಮಾಡುತ್ತಿರಲಾಗಿ ಆತನ ಮುಖಭಾವವು ಬೇರೆಯಾಯಿತು.
೩೦ ಆತನ ಉಡುಪು ಬೆಳ್ಳಗಾಗಿ ಮಿಂಚುತ್ತಾ ಬಂತು. ಇದಲ್ಲದೆ ಇಬ್ಬರು ಪುರುಷರು ಆತನ
ಸಂಗಡ ಮಾತಾಡುತ್ತಿದ್ದರು. ಇವರು ಯಾರಂದರೆ ಮೋಶೆಯೂ ಎಲೀಯನೂ. ೩೧ ಇವರು
ವೈಭವದೊಡನೆ ಕಾಣಿಸಿಕೊಂಡು ಯೆರೂಸಲೇಮಿನಲ್ಲಿ ಆತನು ನೆರವೇರಿಸಬೇಕಾಗಿದ್ದ
ಮರಣದ ವಿಷಯವಾಗಿ ಮಾತಾಡುತ್ತಿದ್ದರು. ೩೨ ಇಷ್ಟರಲ್ಲಿ ಪೇತ್ರನಿಗೂ ಅವನ ಸಂಗಡ
ಇದ್ದವರಿಗೂ ನಿದ್ರೆಯಿಂದ ಮೈಭಾರವಾಗಿತ್ತು. ಆದರೆ ಎಚ್ಚರವಾದ ಮೇಲೆ ಅವರು ಆತನ
ಮಹಿಮೆಯನ್ನೂ ಆತನ ಸಂಗಡ ನಿಂತಿದ್ದ ಆ ಇಬ್ಬರು ಪುರುಷರನ್ನೂ ಕಂಡರು. ೩೩ ಇವರು ಆತನನ್ನು
ಬಿಟ್ಟುಹೋಗುತ್ತಿರುವಾಗ ಪೇತ್ರನು ಯೇಸುವಿಗೆ—ಗುರುವೇ ನಾವು ಇಲ್ಲೇ ಇರುವದು ಒಳ್ಳೇದು,
ಮೂರು ಪರ್ಣಶಾಲೆಗಳನ್ನು ಕಟ್ಟುವೆವು; ನಿನಗೊಂದು ಎಲೀಯನಿಗೊಂದು ಎಂದು ಹೇಳಿದನು.
ತಾನಂದದ್ದು ತನಗೇ ಗೊತ್ತಾಗಲಿಲ್ಲ. ೩೪ ಅವನು ಇದನ್ನು ಹೇಳುತ್ತಿರುವಲ್ಲಿ ಮೋಡವು ಬಂದು
ಅವರ ಮೇಲೆ ಕವಿಯಿತು. ಅವರು ಮೋಡದೊಳಗೆ ಸೇರಿದಾಗ ಹೆದರಿದರು. ೩೫ ಆಗ ಆ

ಮೋಡದೊಳಗಿಂದ—ಈತನು ನನ್ನ ಮಗನು. ನಾನು ಆರಿಸಿಕೊಂಡವನು; ಈತನು ಮಾತನ್ನು
ಕೇಳಿರಿ ಎಂಬ ಆಕಾಶವಾಣಿ ಆಯಿತು. ೩೬ ಆ ವಾಣಿ ಆದ ಮೇಲೆ ಯೇಸುವನ್ನು ಮಾತ್ರ ಕಂಡರು.
ತಾವು ಕಂಡ ಈ ಸಂಗತಿಗಳೊಳಗೆ ಒಂದನ್ನಾದರೂ ಆ ದಿವಸಗಳಲ್ಲಿ ಯಾರಿಗೂ ತಿಳಿಸದೆ
ಸುಮ್ಮನಿದ್ದರು.

### ಯೇಸು ಅಪಸ್ಮಾರರೋಗಿಯನ್ನು ಸ್ವಸ್ಥಮಾಡಿದ್ದು.

(ಮತ್ತಾ. ೧೭.೧೪-೧೮; ಮಾರ್ಕ ೯.೧೪-೨೭)

೩೭ ಮರುದಿವಸ ಅವರು ಬೆಟ್ಟದಿಂದ ಇಳಿದು ಬಂದಾಗ ಜನರ ದೊಡ್ಡ ಗುಂಪು ಆತನೆದುರಿಗೆ
ಬಂತು. ೩೮ ಆಗ ಆ ಗುಂಪಿನಲ್ಲಿ ಒಬ್ಬನು—ಬೋಧಕನೇ, ನನ್ನ ಮಗನಮೇಲೆ ದೃಷ್ಟಿಯಿಡಬೇಕು
ಎಂದು ನಿನ್ನನ್ನು ಬೇಡಿಕೊಳ್ಳುತ್ತೇನೆ. ನನಗೆ ಇವನೊಬ್ಬನೇ ಮಗನು. ಇವನನ್ನು
ದೆವ್ವಹಿಡಿಯುತ್ತದೆ, ಹಿಡಿಯುತ್ತಲೇ ಕೂಗಿಕೊಳ್ಳುತ್ತಾನೆ. ೩೯ ಬಾಯಲ್ಲಿ ನೊರೆ ಬರುವಷ್ಟು
ಇವನನ್ನು ಒದ್ದಾಡಿಸುತ್ತದೆ; ಮತ್ತು ಬಹು ಕಷ್ಟಕೊಟ್ಟು ಜಜ್ಜಿದ ಹೊರತು ಬಿಡುವದಿಲ್ಲ.
೪೦ ಅದನ್ನು ಬಿಡಿಸಬೇಕೆಂದು ನಿನ್ನ ಶಿಷ್ಯರನ್ನು ಬೇಡಿಕೊಂಡೆನು. ಆದರೆ ಅವರಿಂದ
ಆಗದೆಹೋಯಿತು ಎಂದು ಕೂಗಿ ಹೇಳಿದನು. ೪೧ ಅದಕ್ಕೆ ಯೇಸು—ಎಲ್ಲಾ, ನಂಬಿಕೆಯಿಲ್ಲದಂಥ
ಮೂರ್ಖಸಂತಾನವೇ, ನಾನು ಇನ್ನೆಷ್ಟು ದಿನ ನಿಮ್ಮ ಸಂಗಡ ಇದ್ದು ನಿಮ್ಮನ್ನು ಸಹಿಸಿಕೊಳ್ಳಲಿ?
ನಿನ್ನ ಮಗನನ್ನು ಇಲ್ಲಿಗೆ ಕರಕೊಂಡು ಬಾ ಅಂದನು. ೪೨ ಆ ಹುಡುಗನು ಇನ್ನೂ ಬರುತ್ತಿರುವಾಗ ಆ
ದೆವ್ವವು ಅವನನ್ನು ನೆಲಕ್ಕೆ ಅಪ್ಪಳಿಸಿ ಬಹಳವಾಗಿ ಒದ್ದಾಡಿಸಿತು. ಆದರೆ ಯೇಸು ಆ ದೆವ್ವವನ್ನು
ಗದರಿಸಿ ಆ ಹುಡುಗನಿಗೆ ವಾಸಿಮಾಡಿ ಅವನ ತಂದೆಯ ಕೈಗೆ ಕೊಟ್ಟನು. ೪೩ ಅದನ್ನು ನೋಡಿ
ಎಲ್ಲರು ದೇವರ ಮಹತ್ವಕ್ಕೆ ಬೆರಗಾದರು.

### ಯೇಸು ತನ್ನ ಮರಣವನ್ನು ಎರಡನೆಯ ಸಾರಿ ಮುಂತಿಳಿಸಿದ್ದು.

(ಮತ್ತಾ. ೧೭.೨೨,೨೩; ಮಾರ್ಕ ೯.೩೦-೩೨)

ಯೇಸುಮಾಡಿ ಎಲ್ಲಾ ಕಾರ್ಯಗಳಿಗೆಲ್ಲರು ಆಶ್ಚರ್ಯಪಡುತ್ತಿರಲಾಗಿ ಆತನು ತನ್ನ
ಶಿಷ್ಯರಿಗೆ— ೪೪ ನೀವಂತೂ ಈ ಮಾತುಗಳನ್ನು ನಿಮ್ಮ ಮನಸ್ಸಿನಲ್ಲಿ ಇಟ್ಟುಕೊಳ್ಳಿರಿ; ಯಾಕಂದರೆ
ಮನುಷ್ಯಕುಮಾರನು ಮನುಷ್ಯರ ಕೈಗೆ ಒಪ್ಪಿಸಲ್ಪಡುವನು ಎಂದು ಹೇಳಿದನು. ೪೫ ಅವರು
ಈ ಮಾತನ್ನು ಗ್ರಹಿಸಲಿಲ್ಲ; ಅದು ಅವರಿಗೆ ಮರೆಯಾದದರಿಂದ ಅದರ ಅರ್ಥವನ್ನು ಅವರು
ತಿಳಿಯದೆಹೋದರು. ಆ ಮಾತಿನ ವಿಷಯದಲ್ಲಿ ಅವರು ಆತನನ್ನು ಕೇಳುವದಕ್ಕೆ ಅಂಜಿದರು.

### ಯೇಸು ತನ್ನ ಶಿಷ್ಯರಲ್ಲಿ ನಮ್ರತೆಯುಳ್ಳವನೇ ದೊಡ್ಡವನೆಂದು ತೋರಿಸಿದ್ದು.

(ಮತ್ತಾ. ೧೮.೧-೫; ಮಾರ್ಕ ೯.೩೩-೩೭)

೪೬ ತರುವಾಯ ಶಿಷ್ಯರೊಳಗೆ—ತಮ್ಮಲ್ಲಿ ಯಾವನು ಹೆಚ್ಚಿನವನಾಗುವನು ಎಂಬ
ವಿಚಾರಹುಟ್ಟಿತು. ೪೭ ಯೇಸು ಅವರ ಮನಸ್ಸಿನ ವಿಚಾರವನ್ನು ತಿಳಿದು ಒಂದು ಚಿಕ್ಕಮಗುವನ್ನು
ಹಿಡಿದುಕೊಂಡು ತನ್ನ ಬಳಿಯಲ್ಲಿ ನಿಲ್ಲಿಸಿ ಅವರಿಗೆ— ೪೮ ಯಾವನಾದರೂ ನನ್ನ ಹೆಸರಿನಲ್ಲಿ
ಈ ಚಿಕ್ಕ ಮಗುವನ್ನು ಸೇರಿಸಿಕೊಂಡರೆ ನನ್ನನ್ನು ಸೇರಿಸಿಕೊಂಡ ಹಾಗಾಯಿತು; ಮತ್ತು
ಯಾವನಾದರೂ ನನ್ನನ್ನು ಸೇರಿಸಿಕೊಂಡರೆ ನನ್ನನ್ನು ಕಳುಹಿಸಿಕೊಟ್ಟಾತನನ್ನೇ ಸೇರಿಸಿಕೊಂಡ
ಹಾಗಾಯಿತು; ಯಾಕಂದರೆ ನಿಮ್ಮೆಲ್ಲರಲ್ಲಿ ಯಾವನು ಚಿಕ್ಕವನೋ ಅವನೇ ದೊಡ್ಡವನು ಎಂದು
ಹೇಳಿದನು.

### ಯೇಸುವಿನ ಶಿಷ್ಯರನ್ನು ಎದುರಿಸದವರು ಅವರ ಪಕ್ಷದವರಾಗಿದ್ದಾರೆಂಬುವ ಬೋಧೆ.

ಮಾರ್ಕ ೯.೩೮-೪೦)

೪೯ ಅದಕ್ಕೆ ಯೋಹಾನನು—ಗುರುವೇ, ಯಾವನೋ ಒಬ್ಬನು ನಿನ್ನ ಹೆಸರನ್ನು ಹೇಳಿ
ದೆವ್ವಬಿಡಿಸುವದನ್ನು ನಾವು ಕಂಡು ಅವನು ನಮಗೆ ಸೇರಿದವನಲ್ಲವಾದ್ದರಿಂದ ಅವನಿಗೆ
ಅಡ್ಡಿಮಾಡಿದೆವು ಅನ್ನಲು ೫೦ ಯೇಸು ಅವನಿಗೆ—ಅಡ್ಡಿಮಾಡಬೇಡಿರಿ; ನಿಮ್ಮನ್ನು
ಎದುರಿಸದವನು ನಮ್ಮ ಪಕ್ಷದವನೇ ಎಂದು ಹೇಳಿದನು.

## ಯೇಸು ಯೆರೂಸಲೇಮಿಗೆ ಹೋಗುವಾಗ ಆತನನ್ನು ಸಮಾರ್ಯರು ಸೇರಿಸಿಕೊಳ್ಳದೆ ಹೋದದ್ದು

೫೧ ಯೇಸು ತಾನು ಪರಲೋಕವನ್ನೇರುವ ದಿವಸಗಳು ತುಂಬುತ್ತಾ ಬರುವಾಗ ಯೆರೂಸಲೇಮಿಗೆ
ಹೋಗುವದಕ್ಕೆ ಮನಸ್ಸನ್ನು ದೃಢಮಾಡಿಕೊಂಡು ೫೨ ತನ್ನ ಮುಂದಾಗಿ ದೂತರನ್ನು ಕಳುಹಿಸಿದನು.
ಇವರು ಹೊರಟು ಆತನಿಗೆ ಬೇಕಾದದ್ದನ್ನು ಸಿದ್ಧಮಾಡುವದಕ್ಕಾಗಿ ಸಮಾರ್ಯದವರ ಒಂದು ಹಳ್ಳಿಗೆ
ಬಂದರು. ೫೩ ಆದರೆ ಆತನು ಯೆರೂಸಲೇಮಿಗೆ ಹೋಗುವವನಾದದರಿಂದ ಆ ಸಮಾರ್ಯದವರು
ಆತನನ್ನು ಸೇರಿಸಿಕೊಳ್ಳಲಿಲ್ಲ. ೫೪ ಆತನ ಶಿಷ್ಯರಾದ ಯಾಕೋಬ ಯೋಹಾನರು ಇದನ್ನು ಕಂಡು—
ಸ್ವಾಮೀ, ಆಕಾಶದಿಂದ ಬೆಂಕಿಬಿದ್ದು ಇವರನ್ನು ನಾಶಮಾಡಲಿ ಎಂದು ನಾವು ಹೇಳುವದಕ್ಕೆ ನಿನಗೆ
ಮನಸ್ಸುಂಟೋ ಎಂದು ಕೇಳಲು ೫೫ ಆತನು ತಿರಿಗಿ ಕೊಂಡು ಅವರನ್ನು ಗದರಿಸಿದನು. ೫೬ ಆಗ
ಅವರೆಲ್ಲರು ಬೇರೆ ಹಳ್ಳಿಗೆ ಹೋದರು.

## ತನ್ನ ಶಿಷ್ಯರು ದೇವರ ಸೇವೆಗೆ ಮೊದಲಾಗಿ ಬೇರೆ ಯಾವದನ್ನೂ ಚಿಂತಿಸಕೂಡದೆಂದು ಯೇಸು ಬೋಧಿಸಿದ್ದು.

(ಮತ್ತಾ. ೮.೧೯-೨೨)

೫೭ ವರು ದಾರಿಯಲ್ಲಿ ಹೋಗುತ್ತಿರುವಾಗ ಯಾವನೋ ಒಬ್ಬನು ಯೇಸುವಿಗೆ—ನೀನು
ಎಲ್ಲಿಗೆ ಹೋದರೂ ನಾನು ನಿನ್ನ ಹಿಂದೆ ಬರುತ್ತೇನೆ ಎಂದು ಹೇಳಲು ಆತನು ಅವನಿಗೆ—
ನರಿಗಳಿಗೆ ಹುದ್ದುಗಳವೆ, ೫೮ ಆಕಾಶದಲ್ಲಿ ಹಾರಾಡುವ ಹಕ್ಕಿಗಳಿಗೆ ಗೂಡುಗಳವೆ; ಆದರೆ
ಮನುಷ್ಯಕುಮಾರನಿಗೆ ತಲೆಯಿಡುವಷ್ಟು ಸ್ಥಳವೂ ಇಲ್ಲ ಎಂದು ಹೇಳಿದನು. ೫೯ ಆತನು
ಮತ್ತೊಬ್ಬನಿಗೆ—ನನ್ನನ್ನು ಹಿಂಬಾಲಿಸು ಎಂದು ಹೇಳಲು ಅವನು—ಸ್ವಾಮೀ, ನಾನು ಮೊದಲು
ಹೋಗಿ ನನ್ನ ತಂದೆಯ ಉತ್ತರಕ್ರಿಯೆಗಳನ್ನು ಮಾಡಿ ಬರುವಂತೆ ನನಗೆ ಅಪ್ಪಣೆಯಾಗಬೇಕು
ಅಂದನು. ೬೦ ಆದರೆ ಆತನು ಅವನಿಗೆ—ಸತ್ತವರೇ ತಮ್ಮವರಲ್ಲಿ ಸತ್ತುಹೋದವರ
ಉತ್ತರಕ್ರಿಯೆಗಳನ್ನು ಮಾಡಲಿ, ನೀನಂತೂ ಹೋಗಿ ದೇವರ ರಾಜ್ಯವನ್ನು ಪ್ರಸಿದ್ಧಿಪಡಿಸು ಎಂದು
ಹೇಳಿದನು. ೬೧ ಇನ್ನೊಬ್ಬನು ಸಹ—ಸ್ವಾಮೀ, ನಿನ್ನನ್ನು ಹಿಂಬಾಲಿಸುತ್ತೇನೆ; ಆದರೆ ಮೊದಲು
ನನ್ನ ಮನೆಯವರಿಗೆ ಹೇಳಿ ಬರುವದಕ್ಕೆ ನನಗೆ ಅಪ್ಪಣೆಯಾಗಬೇಕು ಅಂದನು. ೬೨ ಯೇಸು
ಅವನಿಗೆ—ಯಾವನಾದರೂ ನೇಗಿಲಿನ ಮೇಲೆ ತನ್ನ ಕೈಯನ್ನು ಹಾಕಿ ಹಿಂದಕ್ಕೆ ನೋಡಿದರೆ
ಅವನು ದೇವರ ರಾಜ್ಯಕ್ಕೆ ತಕ್ಕವನಲ್ಲವೆಂದು ಹೇಳಿದನು.

## ಯೇಸು ಎಪ್ಪತ್ತು ಮಂದಿ ಶಿಷ್ಯರನ್ನು ಸುವಾರ್ತೆ ಸಾರುವದಕ್ಕೆ ಕಳುಹಿಸಿದ್ದು; ಅವರು ಹಿಂತಿರುಗಿ ಬಂದು ತಾವು ಮಾಡಿದ್ದನ್ನು ತಿಳಿಸಿದ್ದು.

ಮತ್ತಾ ೯.೩೭, ೩೮; ೧೦.೭-೧೬; ೧೧.೨೫-೨೭)

೧೦ ೧ ಇದಾದ ಮೇಲೆ ಸ್ವಾಮಿಯು ಇನ್ನೂ ಎಪ್ಪತ್ತು ಮಂದಿಯನ್ನು ನೇಮಿಸಿ ಅವರನ್ನು
ಇಬ್ಬಿಬ್ಬರಾಗಿ ತಾನು ಹೋಗಬೇಕೆಂದಿದ್ದ ಪ್ರತಿಯೊಂದೂರಿಗೂ ಪ್ರತಿಯೊಂದು
ಸ್ಥಳಕ್ಕೂ ಮುಂದಾಗಿ ಕಳುಹಿಸಿದನು. ೨ ಕಳುಹಿಸುವಾಗ ಅವರಿಗೆ ಹೇಳಿದ್ದೇನಂದರೆ—ಬೆಳೆಯು
ಬಹಳ, ಕೆಲಸದವರು ಸ್ವಲ್ಪ; ಆದದರಿಂದ ಬೆಳೆಯ ಯಜಮಾನನನ್ನು—ನಿನ್ನ ಬೆಳೆಗೆ
ಕೆಲಸದವರನ್ನು ಕಳುಹಿಸಬೇಕೆಂದು ಬೇಡಿಕೊಳ್ಳಿರಿ. ೩ ಹೋಗಿರಿ; ತೋಳಗಳ ನಡುವೆ
ಕುರಿಮರಿಗಳನ್ನು ಹೊಗಿಸಿದಂತೆ ನಾನು ನಿಮ್ಮನ್ನು ಕಳುಹಿಸಿಕೊಡುತ್ತೇನೆ ನೋಡಿರಿ. ೪ ಹಣದ
ಚೀಲವನ್ನಾಗಲಿ ಹಸಿಬೆಯನ್ನಾಗಲಿ ಕೆರಗಳನ್ನಾಗಲಿ ತೆಗೆದುಕೊಂಡು ಹೋಗಬೇಡಿರಿ;
ದಾರಿಯಲ್ಲಿ ಯಾರಿಗೂ ವಂದಿಸಬೇಡಿರಿ. ೫ ಇದಲ್ಲದೆ ನೀವು ಯಾವ ಮನೆಯೊಳಗೆ
ಹೋದರೂ—ಈ ಮನೆಗೆ ಶುಭವಾಗಲಿ ಎಂದು ಮೊದಲು ಹೇಳಿರಿ. ೬ ಆಶೀರ್ವಾದಪಾತ್ರನು
ಅಲ್ಲಿ ಇದ್ದರೆ ನಿಮ್ಮ ಆಶೀರ್ವಾದವು ಅವನ ಮೇಲೆ ನಿಲ್ಲುವದು; ಇಲ್ಲದಿದ್ದರೆ ಅದು
ನಿಮಗೆ ಹಿಂತಿರುಗುವದು. ೭ ಆ ಮನೆಯಲ್ಲಿಯೇ ಇದ್ದುಕೊಂಡು ಅವರು ಕೊಡುವಂಥದನ್ನು
ಊಟಮಾಡಿರಿ, ಕುಡಿಯಿರಿ. ಆಳು ತನ್ನ ಕೂಲಿಗೆ ಯೋಗ್ಯನಷ್ಟೆ. ಒಂದು ಮನೆಯನ್ನು ಬಿಟ್ಟು
ಮತ್ತೊಂದು ಮನೆಗೆ ಹೋಗಿ ಇಳುಕೊಳ್ಳಬೇಡಿರಿ. ೮ ಮತ್ತು ನೀವು ಯಾವ ಊರಿಗಾದರೂ
ಹೋದ ಮೇಲೆ ಆ ಜನರು ನಿಮ್ಮನ್ನು ಸೇರಿಸಿಕೊಂಡರೆ ಅವರು ನಿಮಗೆ ಬಡಿಸಿದ್ದನ್ನು
ಊಟಮಾಡಿರಿ. ೯ ಅಲ್ಲಿರುವ ರೋಗಿಗಳಿಗೆ ವಾಸಿಮಾಡಿ ಅವರಿಗೆ—ದೇವರ ರಾಜ್ಯವು ನಿಮ್ಮ

ಸಮೀಪಕ್ಕೆ ಬಂದದದೆ ಎಂದು ಹೇಳಿರಿ. ೧೦ ಆದರೆ ನೀವು ಯಾವ ಊರಿಗಾದರೂ ಹೋದ
ಮೇಲೆ ಆ ಜನರು ನಿಮ್ಮನ್ನು ಸೇರಿಸಿಕೊಳ್ಳದೆಹೋದರೆ ನೀವು ಆ ಊರ ಬೀದಿಗಳಿಗೆ
ಬಂದು— ೧೧ ನಿಮ್ಮ ಊರಿಂದ ನಮ್ಮ ಕಾಲುಗಳಿಗೆ ಹತ್ತಿದ ಧೂಳನ್ನೂ ಒರಸಿಬಿಡುತ್ತೇವೆ; ಅದು
ನಿಮಗೇ ಇರಲಿ; ಆದಾಗ್ಯೂ ದೇವರ ರಾಜ್ಯವು ಸಮೀಪಕ್ಕೆ ಬದದದೆ ಎಂದು ನಿಮಗೆ ತಿಳಿದಿರಲಿ
ಎಂಬದಾಗಿ ಹೇಳಿರಿ. ೧೨ ಆ ದಿವಸದಲ್ಲಿ ಅಂಥ ಊರಿನ ಗತಿಯು ಸೊದೋಮೂರಿನ
ಗತಿಗಿಂತಲೂ ಕಠಿಣವಾಗಿರುವದು ಎಂದು ನಿಮಗೆ ಹೇಳುತ್ತೇನೆ. ೧೩ ಅಯ್ಯೋ ಖೊರಾಜಿನೇ,
ಅಯ್ಯೋ ಬೇತ್ಸಾಯಿದವೇ, ನಿಮ್ಮಲ್ಲಿ ನಡೆದ ಮಹತ್ಕಾರ್ಯಗಳು ತೂರ್ ಮತ್ತು ಸೀದೋನ್
ಪಟ್ಟಣಗಳಲ್ಲಿ ನಡೆದಿದ್ದರೆ ಅಲ್ಲಿಯವರು ಆಗಲೇ ಗೋಣೀತಟ್ಟು ಹೊದ್ದುಕೊಂಡು ಬೂದಿಯಲ್ಲಿ
ಕೂತುಕೊಂಡು ದೇವರ ಕಡೆಗೆ ತಿರುಗಿಕೊಳ್ಳುತ್ತಿದ್ದರು. ೧೪ ಆದರೆ ನ್ಯಾಯವಿಚಾರಣೆಯಲ್ಲಿ
ನಿಮ್ಮ ಗತಿಗಿಂತಲೂ ತೂರ್ ಸೀದೋನ್ ಪಟ್ಟಣಗಳ ಗತಿಯು ಮೇಲಾಗಿರುವದು. ೧೫ ಎಲ್ಲಾ
ಕಪೆರ್ನೌಮೇ, ನೀನು ಪರಲೋಕಕ್ಕೆ ಏರಿಸಲ್ಪಡುವಿಯಾ? ಪಾತಾಳಕ್ಕೇ ಇಳಿಯುವಿ.
೧೬ ನಿಮ್ಮ ಮಾತನ್ನು ಕೇಳುವವನು ನನ್ನ ಮಾತನ್ನು ಕೇಳುವವನಾಗಿದ್ದಾನೆ; ನಿಮ್ಮನ್ನು
ಅಲಕ್ಷ್ಯಮಾಡುವವನು ನನ್ನನ್ನು ಅಲಕ್ಷ್ಯಮಾಡುವವನಾಗಿದ್ದಾನೆ; ನನ್ನನ್ನು ಅಲಕ್ಷ್ಯಮಾಡುವವನು
ನನ್ನನ್ನು ಕಳುಹಿಸಿಕೊಟ್ಟಾತನನ್ನೇ ಅಲಕ್ಷ್ಯಮಾಡುವವನಾಗಿದ್ದಾನೆ ಅಂದನು.
೧೭ ತರುವಾಯ ಆ ಎಪ್ಪತ್ತು ಮಂದಿಯು ಸಂತೋಷವುಳ್ಳವರಾಗಿ ಹಿಂತಿರುಗಿ ಬಂದು—ಸ್ವಾಮೀ,
ದೆವ್ವಗಳು ಕೂಡಾ ನಿನ್ನ ಹೆಸರನ್ನು ಕೇಳಿ ನಮಗೆ ಅಧೀನವಾಗುತ್ತವೆ ಅಂದರು. ೧೮ ಆತನು
ಅವರಿಗೆ—ಸೈತಾನನು ಸಿಡಿಲಿನಂತೆ ಆಕಾಶದಿಂದ ಬೀಳುವದನ್ನು ಕಂಡೆನು. ೧೯ ನೋಡಿರಿ,
ಹಾವುಗಳನ್ನೂ ಚೇಳುಗಳನ್ನು ವೈರಿಯ ಸಮಸ್ತ ಬಲವನ್ನೂ ತುಳಿಯುವದಕ್ಕೆ ನಿಮಗೆ ಅಧಿಕಾರ
ಕೊಟ್ಟಿದ್ದೇನೆ. ಯಾವದೂ ನಿಮಗೆ ಕೇಡು ಮಾಡುವದೇ ಇಲ್ಲ. ೨೦ ಆದರೂ ದೆವ್ವಗಳು ನಮಗೆ
ಅಧೀನವಾಗಿವೆ ಎಂದು ಸಂತೋಷಪಡದೆ ನಮ್ಮ ಹೆಸರುಗಳು ಪರಲೋಕದಲ್ಲಿ ಬರೆದಿರುತ್ತವೆ
ಎಂದು ಸಂತೋಷಪಡಿರಿ ಎಂಬದಾಗ ಹೇಳಿದನು.
೨೧ ಅದೇ ಗಳಿಗೆಯಲ್ಲಿ ಆತನು ಪವಿತ್ರಾತ್ಮನ ಪ್ರೇರಣೆಯಿಂದ ಉಲ್ಲಾಸಗೊಂಡು
ಹೇಳಿದ್ದೇನಂದರೆ—ತಂದೆಯೇ, ಪರಲೋಕ ಭೂಲೋಕಗಳ ಒಡೆಯನೇ, ನೀನು ಜ್ಞಾನಿಗಳಿಗೂ
ಬುದ್ಧಿವಂತರಿಗೂ ಈ ಮಾತುಗಳನ್ನು ಮರೆಮಾಡಿ ಬಾಲಕರಿಗೆ ಪ್ರಕಟಮಾಡಿದ್ದೀ ಎಂದು
ನಿನ್ನನ್ನು ಕೊಂಡಾಡುತ್ತೇನೆ. ಹೌದು, ತಂದೆಯೇ, ಹೀಗೆ ಮಾಡುವದೇ ಒಳ್ಳೇದೆಂದು ನಿನ್ನ
ದೃಷ್ಟಿಗೆ ತೋರಿದ್ದರಿಂದ ನಿನ್ನನ್ನು ಕೊಂಡಾಡುತ್ತೇನೆ. ೨೨ ನನ್ನ ತಂದೆಯು ಎಲ್ಲವನ್ನೂ ನನಗೆ
ಒಪ್ಪಿಸಿದ್ದಾನೆ. ಮಗನು ಇಂಥವನೆಂದು ತಂದೆಯೇ ಹೊರತು ಇನ್ನಾವನೂ ತಿಳಿದವನಲ್ಲ;
ತಂದೆ ಇಂಥವನೆಂದು ಮಗನೇ ಹೊರತು ಇನ್ನಾವನು ತಿಳಿದವನಲ್ಲ; ಮತ್ತು ಮಗನು
ತಂದೆಯನ್ನು ಯಾರಿಗೆ ಪ್ರಕಟಿಸುವದಕ್ಕೆ ಮನಸ್ಸುಳ್ಳವನಾಗಿದ್ದಾನೋ ಅವನೂ ಆತನನ್ನು
ತಿಳಿದವನಾಗಿದ್ದಾನೆ ಅಂದನು. ೨೩ ಆ ಮೇಲೆ ಆತನು ಶಿಷ್ಯರ ಕಡೆಗೆ ತಿರುಗಿ ಕೊಂಡು
ವಿಂಗಡವಾಗಿ ಹೇಳಿದ್ದೇನೆಂದರೆ—ನೀವು ನೋಡುತ್ತಿರುವ ಸಂಗತಿಗಳನ್ನು ನೋಡುವವರು
ಧನ್ಯರು. ೨೪ ಬಹು ಮಂದಿ ಪ್ರವಾದಿಗಳೂ ಅರಸರೂ ನೀವು ನೋಡುತ್ತಿರುವ ಸಂಗತಿಗಳನ್ನು
ನೋಡಬೇಕೆಂದು ಅಪೇಕ್ಷಿಸಿದರೂ ನೋಡಲಿಲ್ಲ, ನೀವು ಕೇಳುತ್ತಿರುವ ಸಂಗತಿಗಳನ್ನು
ಕೇಳಬೇಕೆಂದು ಅಪೇಕ್ಷಿಸಿದರೂ ಕೇಳಲಿಲ್ಲ ಎಂಬದಾಗಿ ನಿಮಗೆ ಹೇಳುತ್ತೇನೆ ಅಂದನು.

### ಯೇಸು ಕರುಣೆಯುಳ್ಳ ಸಮಾರ್ಯದವನ ದೃಷ್ಟಾಂತವನ್ನು ಹೇಳಿದ್ದು

೨೫ ಆಗ ಒಬ್ಬ ಧರ್ಮೋಪದೇಶಕನು ಎದ್ದು ಆತನನ್ನು ಪರೀಕ್ಷಿಸುವದಕ್ಕಾಗಿ—ಬೋಧಕನೇ,
ನಾನು ನಿತ್ಯಜೀವಕ್ಕೆ ಬಾಧ್ಯನಾಗುವಂತೆ ಏನು ಮಾಡಬೇಕು ಎಂದು ಕೇಳಲು ಆತನು ಅವನಿಗೆ—
೨೬ ಶಾಸ್ತ್ರದಲ್ಲಿ ಏನು ಬರೆದದೆ? ಹೇಗೆ ಓದಿದ್ದೀ? ಎಂದು ಹೇಳಿದನು. ೨೭ ಅದಕ್ಕೆ ಅವನು—ನಿನ್ನ
ದೇವರಾಗಿರುವ ಕರ್ತನನ್ನು ನಿನ್ನ ಪೂರ್ಣಹೃದಯದಿಂದಲೂ ನಿನ್ನ ಪೂರ್ಣಪ್ರಾಣದಿಂದಲೂ
ನಿನ್ನ ಪೂರ್ಣಶಕ್ತಿಯಿಂದಲೂ ನಿನ್ನ ಪೂರ್ಣ ಬುದ್ಧಿಯಿಂದಲೂ ಪ್ರೀತಿಸಬೇಕು. ಮತ್ತು ನಿನ್ನ
ನೆರೆಯವನನ್ನು ನಿನ್ನಂತೆಯೇ ಪ್ರೀತಿಸಬೇಕು ಎಂದು ಬರೆದದೆ ಅಂದನು. ೨೮ ಆತನು
ಅವನಿಗೆ—ನೀನು ಸರಿಯಾಗಿ ಉತ್ತರಕೊಟ್ಟೆ; ಇದರಂತೆ ಮಾಡು, ಮಾಡಿದರೆ ಜೀವಿಸುವಿ
ಎಂದು ಹೇಳಿದನು. ೨೯ ಆದರೆ ಅವನು ತನ್ನನ್ನು ನೀತಿವಂತನೆಂದು ತೋರಿಸಿಕೊಳ್ಳುವದಕ್ಕೆ
ಅಪೇಕ್ಷಿಸಿ—ನನ್ನ ನೆರೆಯವನು ಯಾರು ಎಂದು ಯೇಸುವನ್ನು ಕೇಳಲು ೩೦ ಯೇಸು ಅವನಿಗೆ
ಪ್ರತ್ಯುತ್ತರವಾಗಿ ಹೇಳಿದ್ದೇನಂದರೆ—ಒಬ್ಬಾನೊಬ್ಬ ಮನುಷ್ಯನು ಯೆರೂಸಲೇಮಿನಿಂದ ಘಟ್ಟಾ

ಇಳಿದು ಯೆರಿಕೋವಿಗೆ ಹೋಗುತ್ತಿರುವಾಗ ಕಳ್ಳರ ಕೈಗೆ ಸಿಕ್ಕಿದನು. ಅವರು ಅವನನ್ನು ಸುಲಿಗೆ
ಮಾಡಿಕೊಂಡು ಗಾಯವಾಗುವಷ್ಟು ಹೊಡೆದು ಅವನನ್ನು ಅರೆಜೀವಮಾಡಿ ಬಿಟ್ಟುಹೋದರು.
೩೧ ಆಗ ಹೇಗೋ ಒಬ್ಬ ಯಾಜಕನು ಆ ದಾರಿಯಲ್ಲಿ ಇಳಿದುಬರುತ್ತಾ ಅವನನ್ನು ಕಂಡು ವಾರೆಯಾಗಿ
ಹೋದನು. ೩೨ ಅದೇ ರೀತಿಯಲ್ಲಿ ಒಬ್ಬ ಲೇವಿಯನೂ ಆ ಸ್ಥಳಕ್ಕೆ ಬಂದು ಅವನನ್ನು ಕಂಡು
ವಾರೆಯಾಗಿ ಹೋದನು. ೩೩ ಆದರೆ ಒಬ್ಬ ಸಮಾರ್ಯದವನು ಪ್ರಯಾಣಮಾಡುತ್ತಾ ಅವನಿದ್ದಲ್ಲಿಗೆ
ಬಂದು ಅವನನ್ನು ಕಂಡು ಕನಿಕರಿಸಿ ೩೪ ಅವನ ಹತ್ತಿರಕ್ಕೆ ಹೋಗಿ ಅವನ ಗಾಯಗಳಲ್ಲಿ
ಎಣ್ಣೆಯನ್ನೂ ದ್ರಾಕ್ಷಾರಸವನ್ನೂ ಹೊಯ್ದು ಕಟ್ಟಿ ತನ್ನ ಸ್ವಂತ ವಾಹನದ ಮೇಲೆ ಹತ್ತಿಸಿಕೊಂಡು
ಚತ್ರಕ್ಕೆ ಕರಕೊಂಡು ಹೋಗಿ ಅವನನ್ನು ಆರೈಕೆಮಾಡಿದನು. ೩೫ ಮರುದಿನ ಅವನು ಎರಡು
ಹಣಗಳನ್ನು ತೆಗೆದು ಚತ್ರದವನಿಗೆ ಕೊಟ್ಟು—ಇವನನ್ನು ಆರೈಕೆಮಾಡು; ಇದಕ್ಕಿಂತ ಹೆಚ್ಚಾಗಿ
ಏನಾದರೂ ವೆಚ್ಚಮಾಡಿದರೆ ನಾನು ಹಿಂತಿರುಗಿ ಬಂದಾಗ ನಿನಗೆ ಕೊಡುವೆನು ಅಂದನು. ೩೬ ಈ
ಮೂವರಲ್ಲಿ ಯಾವನು ಕಳ್ಳರ ಕೈಗೆ ಸಿಕ್ಕಿದವನಿಗೆ ನೆರೆಯವನಾದನೆಂದು ನಿನಗೆ ತೋರುತ್ತದೆ
ಹೇಳು ಎಂದು ಕೇಳಿದ್ದಕ್ಕೆ ೩೭ ಆ ಧರ್ಮೋಪದೇಶಕನು—ಅವನಿಗೆ ದಯತೋರಿಸಿದವನೇ
ಅಂತನು. ಆಗ ಯೇಸು ಅವನಿಗೆ—ಹೋಗು, ನೀನೂ ಅದರಂತೆ ಮಾಡು ಎಂದು ಹೇಳಿದನು.

### ಮಾರ್ಥಳು ಮರಿಯಳು ಎಂಬವರ ಮನೆಯಲ್ಲಿ ಯೇಸು ಇಳುಕೊಂಡದ್ದು

೩೮ ಅವರು ಸಂಚಾರಮಾಡುತ್ತಿರುವಾಗ ಆತನು ಒಂದಾನೊಂದು ಹಳ್ಳಿಗೆ ಬಂದನು; ಅಲ್ಲಿ
ಮಾರ್ಥಳೆಂಬ ಒಬ್ಬ ಸ್ತ್ರೀಯು ಆತನನ್ನು ತನ್ನ ಮನೆಯಲ್ಲಿ ಇಳಿಸಿಕೊಂಡಳು. ೩೯ ಅಕೆಗೆ
ಮರಿಯಳೆಂಬ ಒಬ್ಬ ತಂಗಿ ಇದ್ದಳು. ಈಕೆಯು ಸ್ವಾಮಿಯ ಪಾದಗಳ ಬಳಿಯಲ್ಲಿ ಕೂತುಕೊಂಡು
ಆತನ ವಾಕ್ಯವನ್ನು ಕೇಳುತ್ತಿದ್ದಳು. ೪೦ ಅದರೆ ಮರ್ಥಳು ಬಹಳ ಸೇವೆಯ ವಿಷಯವಾಗಿ
ಬೇಸತ್ತು ಆತನ ಬಳಿಗೆ ಬಂದು—ಸ್ವಾಮೀ, ನನ್ನ ತಂಗಿಯು ಸೇವೆಗೆ ನನ್ನೊಬ್ಬಳನ್ನೇ
ಬಿಟ್ಟಿದ್ದಾಳೆ, ಇದಕ್ಕೆ ನಿನಗೆ ಚಿಂತೆಯಿಲ್ಲವೋ? ನನಗೆ ನೆರವಾಗಬೇಕೆಂದು ಆಕೆಗೆ ಹೇಳು
ಅಂದಳು. ೪೧ ಸ್ವಾಮಿಯು ಅಕೆಗೆ—ಮಾರ್ಥಳೇ, ಮಾರ್ಥಳೇ, ನೀನು ಅನೇಕ ವಿಷಯವಾಗಿ
ಚಿಂತೆಯಲ್ಲಿಯೂ ಗಡಿಬಿಡಿಯಲ್ಲಿಯೂ ಸಿಕ್ಕಿಕೊಂಡಿದ್ದೀ. ೪೨ ಕೆಲವು ಮಾತ್ರ ಬೇಕಾದದ್ದು,
ಅಥವಾ ಒಂದೇ, ಮರಿಯಳು ಆ ಉತ್ತಮ ಭಾಗವನ್ನು ಆರಿಸಿಕೊಂಡಿದ್ದಾಳೆ; ಅದು ಆಕೆಯಿಂದ
ತೆಗೆಯಲ್ಪಡುವದಿಲ್ಲ ಎಂದು ಉತ್ತರಕೊಟ್ಟನು.

### ಮನುಷ್ಯರು ದೇವರ ಪ್ರಾರ್ಥನೆಯಲ್ಲಿ ಆಸಕ್ತರಾಗಿರಬೇಕೆಂದು ಯೇಸುವು ಸಾಮ್ಯರೂಪವಾಗಿ ಬೋಧಿಸಿದ್ದು.

(ಮತ್ತ. ೬.೯-೧೫; ೭.೭-೧೧)

೧೧ ೧ ಆತನು ಒಂದಾನೊಂದು ಸ್ಥಳದಲ್ಲಿ ಪ್ರಾರ್ಥನೆ ಮಾಡಿ ಮುಗಿಸಿದಾಗ ಆತನ ಶಿಷ್ಯರಲ್ಲಿ
ಒಬ್ಬನು ಆತನಿಗೆ—ಸ್ವಾಮೀ, ಯೋಹಾನನು ತನ್ನ ಶಿಷ್ಯರಿಗೆ ಕಲಿಸಿದ ಹಾಗೆ ನಮಗೂ
ಪ್ರಾರ್ಥನೆಮಾಡುವದನ್ನು ಕಲಿಸು ಎಂದು ಹೇಳಿದನು. ೨ ಅದಕ್ಕಾತನು—ನೀವು ಪ್ರಾರ್ಥಿಸುವಾಗ—
ತಂದೆಯೇ, ನಿನ್ನ ನಾಮವು ಪರಿಶುದ್ಧವೆಂದು ಎಣಿಸಲ್ಪಡಲಿ.
ನಿನ್ನ ರಾಜ್ಯವು ಬರಲಿ.
೩ ನಮ್ಮ ಅನುದಿನದ ಆಹಾರವನ್ನು ಪ್ರತಿದಿನವೂ ದಯಪಾಲಿಸು.
೪ ನಮಗೆ ತಪ್ಪುಮಾಡಿರುವ ಪ್ರತಿಯೊಬ್ಬನನ್ನು ನಾವು ಕ್ಷಮಿಸುತ್ತೇವಾದ್ದರಿಂದ ನಮ್ಮ ಪಾಪಗಳನ್ನು
ಕ್ಷಮಿಸು.
ನಮ್ಮನ್ನು ಶೋಧನೆಯೊಳಗೆ ಸೇರಿಸಬೇಡ ಎಂದು ಹೇಳಿರಿ ಅಂದನು.
೫ ಮತ್ತು ಅವರಿಗೆ ಹೇಳಿದ್ದೇನಂದರೆ—ನಿಮ್ಮಲ್ಲಿ ಒಬ್ಬನಿಗೆ ಸ್ನೇಹಿತನಿದ್ದಾನೆ ಎಂದು
ಹೇಳೋಣ. ಅವನು ಸರುಹೊತ್ತಿನಲ್ಲಿ ಆ ಸ್ನೇಹಿತನ ಬಳಿಗೆ ಹೋಗಿ—ಸ್ನೇಹಿತನೇ, ನನಗೆ
ಮೂರು ರೊಟ್ಟಿಗಳನ್ನು ಕಡವಾಗಿ ಕೊಡು. ೬ ನನ್ನ ಸ್ನೇಹಿತರಲ್ಲಿ ಒಬ್ಬನು ಎಲ್ಲಿಗೋ ಪ್ರಯಾಣವಾಗಿ
ನನ್ನ ಬಳಿಗೆ ಬಂದಿದ್ದಾನೆ; ಅವನಿಗೆ ಊಟಮಡಿಸುವದಕ್ಕೆ ನನ್ನಲ್ಲಿ ಏನೂ ಇಲ್ಲ ಎಂದು ಕೇಳಲು
೭ ಆ ಸ್ನೇಹಿತನು—ನನಗೆ ತೊಂದರೆಕೊಡಬೇಡ; ಈಗ ಕದಾಹಾಕಿ ಅದೆ; ನನ್ನ ಚಿಕ್ಕ ಮಕ್ಕಳು
ನನ್ನ ಕೂಡ ಮಲಗಿದ್ದಾರೆ; ನಾನು ಎದ್ದು ನಿನಗೆ ಕೊಡುವದಕ್ಕಾಗುವದಿಲ್ಲ ಎಂದು ಒಳಗಿನಿಂದ
ಉತ್ತರಕೊಟ್ಟರೂ ಕೊಡಬಹುದು. ೮ ಆದರೆ ಸ್ನೇಹದ ನಿಮಿತ್ತವಾಗಿ ಎದ್ದು ಕೊಡದೆ ಇದ್ದರೂ
ಅವನ ಕಾಟದ ದೆಸೆಯಿಂದ ಎದ್ದು ಬಂದು ಕೇಳಿದಷ್ಟು ಅವನಿಗೆ ಕೊಡುವನೆಂದು ನಿಮಗೆ

ಹೇಳುತ್ತೇನೆ. ೯ ಹಾಗೆಯೇ ನಾನು ನಿಮಗೆ ಹೇಳುವದೇನಂದರೆ—ಬೇಡಿಕೊಳ್ಳಿರಿ, ನಿಮಗೆ
ದೊರೆಯುವದು; ಹುಡುಕಿರಿ, ನಿಮಗೆ ಸಿಕ್ಕುವದು; ೧೦ ತಟ್ಟಿರಿ, ನಿಮಗೆ ತೆರೆಯುವದು.
ಯಾಕಂದರೆ ಬೇಡಿಕೊಳ್ಳುವ ಪ್ರತಿಯೊಬ್ಬನು ಹೊಂದುವವನು, ಹುಡುಕುವವನಿಗೆ ಸಿಕ್ಕುವದು,
ತಟ್ಟುವವನಿಗೆ ತೆರೆಯುವದು. ೧೧ ನಿಮ್ಮಲ್ಲಿ ತಂದೆಯಾದವನು ಮೀನನ್ನು ಕೇಳುವ ಮಗನಿಗೆ
ಮೀನು ಕೊಡದೆ ಹಾವನ್ನು ಕೊಡುವನೇ? ೧೨ ಅಥವಾ ತತ್ತಿಯನ್ನು ಕೇಳಿದರೆ ಚೇಳನ್ನು
ಕೊಡುವನೇ? ೧೩ ಹಾಗಾದರೆ ಕೆಟ್ಟವರಾದ ನೀವು ನಿಮ್ಮ ಮಕ್ಕಳಿಗೆ ಒಳ್ಳೇ ಪದಾರ್ಥಗಳನ್ನು
ಕೊಡಬಲ್ಲವರಾದರೆ ಪರಲೋಕದಲ್ಲಿರುವ ನಿಮ್ಮ ತಂದೆಯು ತನ್ನನ್ನು ಬೇಡಿಕೊಳ್ಳುವವರಿಗೆ
ಎಷ್ಟೋ ಹೆಚ್ಚಾಗಿ ಪವಿತ್ರಾತ್ಮವರವನ್ನು ಕೊಡುವನಲ್ಲವೇ ಅಂದನು.

### ಫರಿಸಾಯರು ಯೇಸುವನ್ನು ದೂಷಿಸಿ ಸೂಚಕಕಾರ್ಯವನ್ನು ನೋಡಬೇಕೆಂದು ಕೇಳಿಕೊಂಡಾಗ ಯೇಸು ಕೊಟ್ಟ ಉತ್ತರ.

(ಮತ್ತಾ. ೧೨.೨೨-೪೫; ಮಾರ್ಕ ೩.೨೨-೩೦; ೮.೧೧,೧೨)

೧೪ ಒಂದನೊಂದು ಸಮಯದಲ್ಲಿ ಆತನು ಮೂಕದೆವ್ವವನ್ನು ಬಿಡಿಸುತ್ತಿದ್ದನು. ಆ ದೆವ್ವವು
ಬಿಟ್ಟು ಹೋದ ಮೇಲೆ ಮೂಕನು ಮಾತಾಡಿದನು; ಅದಕ್ಕೆ ಜನರು ಆಶ್ಚರ್ಯಪಟ್ಟರು. ೧೫ ಆದರೆ
ಅವರಲ್ಲಿ ಕೆಲವರು—ಇವನು ದೆವ್ವಗಳ ಒಡೆಯನಾದ ಬೆಲ್ಜಬೂಲನ ಸಹಾಯದಿಂದ ದೆವ್ವಗಳನ್ನು
ಬಿಡಿಸುತ್ತಾನೆ ಅಂದರು. ೧೬ ಬೇರೆ ಕೆಲವರು ಆತನನ್ನು ಪರೀಕ್ಷಿಸುವದಕ್ಕಾಗಿ—ನೀನು ಆಕಾಶದಲ್ಲಿ
ಒಂದು ಸೂಚಕಕಾರ್ಯವನ್ನು ತೋರಿಸಿ ಕೊಡಬೇಕು ಎಂದು ಕೇಳಿದರು. ೧೭ ಆತನು ಅವರ
ಆಲೋಚನೆಗಳನ್ನು ತಿಳುಕೊಂಡು ಅವರಿಗೆ ಹೇಳಿದ್ದೇನಂದರೆ—ತನ್ನಲ್ಲಿ ಭೇದಹುಟ್ಟಿದ
ರಾಜ್ಯವು ಹಾಳಾಗುತ್ತದೆ; ಮತ್ತು ತನ್ನಲ್ಲಿ ಭೇದಹುಟ್ಟಿದ ಮನೆಬೀಳುತ್ತದೆ. ೧೮ ಅದರಂತೆ ಸೈತಾನನು
ತನ್ನಲ್ಲಿ ಭೇದಹುಟ್ಟಿಸಿಕೊಂಡರೆ ಅವನ ರಾಜ್ಯವು ಹೇಗೆ ಉಳಿದೀತು? ಬೆಲ್ಜೆಬೂಲನ ಬಲದಿಂದ
ದೆವ್ವಗಳನ್ನು ಬಿಡಿಸುತ್ತೀ ಎಂದು ನನಗೆ ಹೇಳುತ್ತೀರಲ್ಲಾ. ೧೯ ನಾನು ಬೆಲ್ಜೆಬೂಲನ ಬಲದಿಂದ
ದೆವ್ವಗಳನ್ನು ಬಿಡಿಸುವದಾದರೆ ನಿಮ್ಮವರು ಯಾರ ಬಲದಿಂದ ಬಿಡಿಸುತ್ತಾರೆ ನಿಮ್ಮವರು ಯಾರ
ಬಲದಿಂದ ಬಿಡಿಸುತ್ತಾರೆ? ಆದದರಿಂದ ಅವರೇ ನಿಮಗೆ ನ್ಯಾಯತೀರಿಸುವವರಾಗುವರು.
೨೦ ನಾನು ದೇವರ ಬಲದಿಂದಲೇ ದೆವ್ವಗಳನ್ನು ಬಿಡಿಸುವದಾದರೆ ದೇವರ ರಾಜ್ಯವು ನಿಮ್ಮ
ಹತ್ತರಕ್ಕೆ ಬಂತಲ್ಲಾ. ೨೧ ಒಬ್ಬ ಬಲಿಷ್ಠನು ಸರ್ವಾಯುಧಗಳನ್ನು ಧರಿಸಿಕೊಂಡು ತನ್ನ ಮನೆಯನ್ನು
ಕಾಪಾಡಿಕೊಂಡಿರುವಾಗ ಅವನ ವಸ್ತುಗಳು ಭದ್ರವಾಗಿಯೇ ಇರುವವು; ೨೨ ಆದರೆ ಅವನಿಗಿಂತ
ಬಲಿಷ್ಠನು ಬಂದು ಅವನನ್ನು ಸೋಲಿಸಿದ ಮೇಲೆ ಆ ಮೊದಲಿನವನು ನೆಚ್ಚಿಕೊಂಡಿದ್ದ
ಆಯುಧಗಳನ್ನೆಲ್ಲಾ ತೆಗೆದುಕೊಂಡು ತಾನು ಸುಲಿಗೆಮಾಡಿದ್ದನ್ನು ಹಂಚಿಕೊಡುವನು.
೨೩ ನನ್ನ ಪಕ್ಷ ಹಿಡಿಯದವನು ನನಗೆ ವಿರೋಧಿ; ನನ್ನ ಜೊತೆಯಲ್ಲಿ ಒಟ್ಟುಗೂಡಿಸದವನು
ಚದರಿಸುವವನಾಗುತ್ತಾನೆ. ೨೪ ದೆವ್ವವು ಮನುಷ್ಯನನ್ನು ಬಿಟ್ಟುಹೋದ ಮೇಲೆ ವಿಶ್ರಾಂತಿಯನ್ನು
ಹುಡುಕುತ್ತಾ ನೀರಿಲ್ಲದ ಸ್ಥಳಗಳಲ್ಲಿ ತಿರುಗಾಡುತ್ತದೆ; ವಿಶ್ರಾಂತಿ ಸಿಕ್ಕದ ಕಾರಣ ಅದು—ನಾನು
ಬಿಟ್ಟು ಬಂದ ನನ್ನ ಮನೆಗೆ ಹಿಂತಿರುಗಿ ಹೋಗುತ್ತೇನೆ ಅಂದುಕೊಂಡು ಬಂದು ೨೫ ಆ ಮನೆ
ಗುಡಿಸಿ ಅಲಂಕರಿಸಿದ್ದಾಗಿರುವದನ್ನು ಕಂಡು ಹೊರಟುಹೋಗಿ ೨೬ ತನಗಿಂತ ಕೆಟ್ಟವುಗಳಾದ
ಬೇರೆ ಏಳು ದೆವ್ವಗಳನ್ನು ಕರಕೊಂಡು ಬರುವದು; ಅವು ಒಳಹೊಕ್ಕು ಅಲ್ಲಿ ವಾಸಮಾಡುವವು; ಆಗ
ಆ ಮನುಷ್ಯನ ಅಂತ್ಯಸ್ಥಿತಿಯು ಮೊದಲಿಗಿಂತ ಕೆಟ್ಟದ್ದಾಗುವದು ಅಂದನು.

೨೭ ಆತನು ಈ ಮಾತುಗಳನ್ನು ಹೇಳುತ್ತಿರುವಾಗ ಜನರಲ್ಲಿ ಒಬ್ಬ ಸ್ತ್ರೀಯು—ನಿನ್ನನ್ನು ಹೊತ್ತ
ಗರ್ಭವೂ ನೀನು ಕುಡಿದ ಮೊಲೆಗಳೂ ಧನ್ಯವಾದವುಗಳು ಎಂದು ಕೂಗಿದಳು. ೨೮ ಆತನು—ಹಾಗನ್ನ
ಬೇಡ, ದೇವರ ವಾಕ್ಯವನ್ನು ಕೇಳಿ ಅದಕ್ಕೆ ಸರಿಯಾಗ ನಡಕೊಳ್ಳುವವರೇ ಧನ್ಯರು ಅಂದನು.

೨೯ ಜನರು ಗುಂಪುಗುಂಪಾಗಿ ಕೂಡಿಬರುತ್ತಿರುವಾಗ ಆತನು ಹೇಳುವದಕ್ಕೆ
ತೊಡಗಿದ್ದೇನಂದರೆ—ಈ ಸಂತತಿ ಕೆಟ್ಟ ಸಂತತಿಯೇ; ಇದು ಸೂಚಕಕಾರ್ಯವನ್ನು
ನೋಡಬೇಕೆಂದು ಅಪೇಕ್ಷಿಸುತ್ತದೆ. ಆದರೆ ಯೋನನಲ್ಲಿ ಆದ ಸೂಚಕಕಾರ್ಯವೇ
ಹೊರತು ಬೇರೆ ಯಾವದೂ ಇದಕ್ಕೆ ಸಿಕ್ಕುವದಿಲ್ಲ. ೩೦ ಹೇಗೆಂದರೆ ಯೋನನು ನಿನೆವೆ
ಪಟ್ಟಣದವರಿಗೆ ಗುರುತಾದ ಹಾಗೆಯೇ ಮನುಷ್ಯಕುಮಾರನು ಈ ಸಂತತಿಗೆ ಗುರುತಾಗಿರುವನು.
೩೧ ದಕ್ಷಿಣದೇಶದ ರಾಣಿಯು ನ್ಯಾಯವಿಚಾರಣೆಯಲ್ಲಿ ಈ ಸಂತತಿಯವರೊಂದಿಗೆ
ಎದ್ದುನಿಂತು ಇವರನ್ನು ಅಪರಾಧಿಗಳೆಂದು ಹೇಳುವಳು; ಆಕೆಯು ಸೊಲೊಮೋನನ
ಜ್ಞಾನವನ್ನು ತಿಳುಕೊಳ್ಳುವದಕ್ಕೆ ಭೂಮಿಯ ಕಟ್ಟಕಡೆಯಿಂದ ಬಂದಳು; ಆದರೆ ಇಲ್ಲಿ

ಸೊಲೊಮೋನನಿಗಿಂತಲೂ ಹೆಚ್ಚಿನವನಿದ್ದಾನೆ. ೩೨ ನ್ಯಾಯ ವಿಚಾರಣೆಯಲ್ಲಿ ನಿನೆವೆ
ಪಟ್ಟಣದವರು ಈ ಸಂತತಿಯವರೊಂದಿಗೆ ನಿಂತು ಇವರನ್ನು ಅಪರಾಧಿಗಳೆಂದು ಹೇಳುವರು.
ಅವರು ಯೋನನು ಸಾರಿದ ವಾಕ್ಯವನ್ನು ಕೇಳಿ ದೇವರ ಕಡೆಗೆ ತಿರುಗಿಕೊಂಡರು; ಆದರೆ ಇಲ್ಲಿ
ಯೋನನಿಗಿಂತಲೂ ಹೆಚ್ಚಿನವನಿದ್ದಾನೆ.
೩೩ ಯಾರೂ ದೀಪವನ್ನು ಹಚ್ಚಿ ಮರೆಯಲ್ಲಾಗಲಿ ಕೊಳಗದೊಳಗಾಗಲಿ ಇಡುವದಿಲ್ಲ.
ಮನೆಯೊಳಕ್ಕೆ ಬರುವವರಿಗೆ ಬೆಳಕು ಕಾಣಿಸುವಂತೆ ಆ ದೀಪವನ್ನು ದೀಪಸ್ತಂಭದ ಮೇಲೆ
ಇಡುತ್ತಾರಷ್ಟೆ. ೩೪ ನಿನ್ನ ಕಣ್ಣು ದೇಹಕ್ಕೆ ದೀಪವಾಗಿದೆ; ನಿನ್ನ ಕಣ್ಣು ನೆಟ್ಟಗಿರುವಾಗ ಅದರಂತೆ
ನಿನ್ನ ದೇಹವೆಲ್ಲಾ ಬೆಳಕಾಗಿರುವದು; ಅದು ಕೆಟ್ಟದ್ದಾಗಿರುವಾಗ ಅದರಂತೆ ನಿನ್ನ ದೇಹವು
ಕತ್ತಲಾಗಿರುವದು. ೩೫ ಆದದರಿಂದ ನಿನಸ್ನೊಳಗಿರುವ ಬೆಳಕೇ ಕತ್ತಲಾಗಿದೆಯೋ ಏನೋ
ನೋಡು. ೩೬ ನಿನ್ನ ದೇಹವೆಲ್ಲಾ ಬೆಳಕಾಗಿದ್ದು ಒಂದು ಭಾಗದಲ್ಲಿಯೂ ಕತ್ತಲಿಲ್ಲದ್ದಾಗಿದ್ದರೆ
ದೀಪವು ಹೊಳೆದು ನಿನಗೆ ಬೆಳಕನ್ನು ಕೊಡುವ ಕಾಲದಲ್ಲಿ ಹೇಗೋ ಹಾಗೆಯೇ ಅದು
ಪೂರ್ಣವಾಗಿ ಬೆಳಕಾಗಿರುವದು ಅಂದನು.

### ಯೇಸು ಫರಿಸಾಯರ ದುರ್ಗುಣಗಳನ್ನು ಖಂಡಿಸಿದ್ದು.

(ಮತ್ತಾ. ೨೩.೧-೩೬)

೩೭ ಆತನು ಮಾತಾಡುತ್ತಿರುವಾಗ ಒಬ್ಬ ಫರಿಸಾಯನು ಆತನನ್ನು ಊಟಕ್ಕೆ ಬರಬೇಕೆಂದು
ಕೇಳಿಕೊಳ್ಳಲು ಆತನು ಒಳಕ್ಕೆ ಹೋಗಿ ಊಟಕ್ಕೆ ಕೂತುಕೊಂಡನು. ೩೮ ಆತನು ತೊಳಕೊಳ್ಳದೆ
ಊಟಕ್ಕೆ ಕೂತದ್ದನ್ನು ಆ ಫರಿಸಾಯನು ಕಂಡು ಆಶ್ಚರ್ಯಪಟ್ಟನು. ೩೯ ಸ್ವಾಮಿಯು ಅವನಿಗೆ—
ಫರಿಸಾಯರಾದ ನೀವು ಪಂಚಪಾತ್ರೆ ಒಟ್ಟಲು ಇವುಗಳ ಹೊರಭಾಗವನ್ನು ಶುಚಿಮಾಢುತ್ತೀರಿ
ಸರಿ; ಆದರೆ ನಿಮ್ಮ ಒಳಭಾಗವು ಸುಲಿಗೆಯಿಂದಲೂ ಕೆಟ್ಟತನದಿಂದಲೂ ತುಂಬಿರುತ್ತದೆ.
೪೦ ಬುದ್ಧಿಯಿಲ್ಲದವರೇ, ಹೊರಭಾಗವನ್ನು ಮಾಡಿದಾತನು ಒಳಭಾಗವನ್ನೂ ಮಾಡಿದನಲ್ಲವೇ.
೪೧ ಹೇಗೂ ಒಳಗಿರುವಂಥದನ್ನು ದಾನಾಕೊಡಿರಿ; ಆಗ ಸಕಲವೂ ನಿಮಗೆ ಶುದ್ಧವಾಗಿರುವದು.
೪೨ ಅಯ್ಯೋ ಫರಿಸಾಯರೇ, ನೀವು ಮರುಗ ಸದಾಪುಮುಂತಾದ ಸಕಲ ಪಲ್ಯಗಳಲ್ಲಿ
ಹತ್ತರಲ್ಲೊಂದು ಪಾಲು ಕೊಡುತ್ತೀರಿ ಸರಿ; ಆದರೆ ನ್ಯಾಯವನ್ನೂ ದೇವರ ಪ್ರೀತಿಯನ್ನೂ ಒತ್ತಟ್ಟಿಗೆ
ಬಿಟ್ಟಿದ್ದೀರಿ; ಇವುಗಳನ್ನು ಮಾಡಬೇಕಾಗಿತ್ತು, ಅವುಗಳನ್ನೂ ಬಿಡಬಾರದು. ೪೩ ಅಯ್ಯೋ
ಫರಿಸಾಯರೇ, ಸಭಾಮಂದಿರಗಳಲ್ಲಿ ಮುಖ್ಯಪೀಠಗಳೂ ಅಂಗಡಿ ಬೀದಿಗಳಲ್ಲಿ ನಮಸ್ಕಾರಗಳೂ
ನಿಮಗೆ ಇಷ್ಟ. ೪೪ ನಿಮ್ಮ ಗತಿಯನ್ನು ಏನು ಹೇಳಲಿ; ನೆಲಸಮವಾದ ಸಮಾಧಿಗಳ ಹಾಗಿದ್ದೀರಿ;
ಅವುಗಳ ಮೇಲೆ ತಿರುಗಾಡುವ ಜನರಿಗೆ ಇವು ಸಮಾಧಿಗಳೆಂದು ತಿಳಿಯದು ಎಂದು ಹೇಳಿದನು.
೪೫ ಇದನ್ನು ಕೇಳಿ ಒಬ್ಬ ಧರ್ಮೋಪದೇಶಕನು ಆತನಿಗೆ—ಬೋಧಕನೇ, ಈ ಮಾತುಗಳನ್ನು
ಹೇಳುವದರಿಂದ ನಮ್ಮನ್ನೂ ನಿಂದಿಸಿದ ಹಾಗಾಯಿತು ಎಂದು ಹೇಳಲು ೪೬ ಆತನು —
ಧರ್ಮೋಪದೇಶಕರೇ, ನಿಮ್ಮ ಗತಿಯನ್ನೂ ಏನು ಹೇಳಲಿ? ನೀವು ಜನರ ಮೇಲೆ ಹೊರಲಾರದ
ಹೊರೆಗಳನ್ನು ಹೊರಿಸುತ್ತೀರಿ; ನೀವಾದರೋ ಆ ಹೊರೆಗಳನ್ನು ಒಂದು ಬೆರಳಿನಿಂದಲೂ
ಮುಟ್ಟುವದಿಲ್ಲ. ೪೭ ನಿಮ್ಮ ಗತಿಯನ್ನು ಏನು ಹೇಳಲಿ? ನೀವು ಪ್ರವಾಧಿಗಲ ಗೋರಿಗಳನ್ನು
ಕಟ್ಟುತ್ತೀರಿ; ಅವರನ್ನು ಕೊಂದವರು ನಿಮ್ಮ ಪಿತೃಗಳೇ. ೪೮ ಹೀಗಿರುವದರಿಂದ ನಿಮ್ಮ ಪಿತೃಗಳು
ಮಾಡಿದ್ದಕ್ಕೆ ನೀವೇ ಸಾಕ್ಷಿಗಳಾಗಿರುವದಲ್ಲದ ಅವರ ಕೃತ್ಯಗಳಿಗೆ ಒಪ್ಪಿಕೊಂಡ ಹಾಗಾಯಿತು.
ಹೇಗಂದರೆ ಅವರು ಪ್ರವಾದಿಗಳನ್ನು ಕೊಂದರು, ನೀವು ಗೋರಿಗಳನ್ನೇ ಕಟ್ಟುತ್ತೀರಿ. ೪೯ ಆದ್ದರಿಂದ
ದೇವರ ಜ್ಞಾನವು ಹೇಳಿದ್ದೇನಂದರೆ—ನಾನು ಅವರ ಬಳಿಗೆ ಪ್ರವಾದಿಗಳನ್ನೂ ಅಪೊಸ್ತಲರನ್ನೂ
ಕಳುಹಿಸುವೆನು; ಅವರಲ್ಲಿ ಕೆಲವರನ್ನು ಕೊಲ್ಲುವರು; ಕೆಲವರನ್ನು ಹಿಂಸೆಪಡಿಸುವರು.
೫೦-೫೧ ಹೀಗೆ ಲೋಕಾದಿಯಿಂದ ಹೇಬೆಲನ ರಕ್ತವು ಮೊದಲುಗೊಂಡು ಯಜ್ಞವೇದಿಗೂ
ದೇವಾಲಯಕ್ಕೂ ನಡುವೆ ಹತವಾದ ಜಕರೀಯನ ರಕ್ತದವರೆಗೂ ಸುರಿಸಲ್ಪಟ್ಟ ಎಲ್ಲಾ ಪ್ರವಾದಿಗಳ
ರಕ್ತಕ್ಕೂ ಈ ಸಂತತಿಯವರು ಉತ್ತರಕೊಡಬೆಕು ಎಂದಬೇ; ಹೌದು, ಈ ಸಂತತಿಯವರೇ
ಉತ್ತರಕೊಡಬೇಕೆಂದು ನಿಮಗೆ ಹೇಳುತ್ತೇನೆ. ೫೨ ಅಯ್ಯೋ ಧರ್ಮೋಪದೇಶಕರೇ,
ಜ್ಞಾನಕ್ಕೆ ಸಾಧನವಾದ ಬೀಗದಕ್ಕೈಯನ್ನು ತೆಗೆದುಬಿಟ್ಟಿರಿ. ನೀವೂ ಒಳಕ್ಕೆ ಹೋಗಲಿಲ್ಲ; ಒಳಕ್ಕೆ
ಹೋಗುತ್ತಿರುವವರಿಗೂ ಅಡ್ಡಿಮಾಡಿದಿರಿ ಅಂದನು.

೫೩ ಬಳಿಕ ಆತನು ಅಲ್ಲಿಂದ ಹೊರಗೆ ಬಂದಾಗ ಶಾಸ್ತ್ರಿಗಳೂ ಫರಿಸಾಯರೂ ಆತನನ್ನು ಕಠಿನವಾಗಿ
ವಿರೋಧಿಸಿ ಅನೇಕ ವಿಷಯಗಳನ್ನು ಕುರಿತು ಆತನನ್ನು ಅಡ್ಡಾದಿಡ್ಡೀ ಪ್ರಶ್ನೆಮಾಡುತ್ತಾ ೫೪ ಆತನ
ಬಾಯಿಮಾತಿನಲ್ಲಿ ಏನಾದರೂ ಹಿಡಿಯಬೇಕೆಂದು ಆತನನ್ನು ಹೊಂಚಿನೋಡುತ್ತಿದ್ದರು.

ಫರಿಸಾಯರ ಉಪದೇಶಕ್ಕೆ ಎಚ್ಚರಿಕೆಯಾಗಿರಬೇಕೆಂದು ಯೇಸು ಭೋಧಿಸಿದ್ದು

(ಮತ್ತಾ. ೧೦.೨೬-೩೩) ೧ ಇಷ್ಟರಲ್ಲಿ ಸಾವಿರಾರು ಜನರು ಒಬ್ಬರನ್ನೊಬ್ಬರು ತುಳಿಯುವಷ್ಟು
ಕೂಡಿಬಂದಿರಲಾಗಿ ಆತನು ಮೊದಲು ತನ್ನ ಶಿಷ್ಯರಿಗೆ ಹೇಳುವುದಕ್ಕೆ ತೊಡಗಿದ್ದೇನಂದರೆ
ಫರಿಸಾಯರ ಕಪಟವೆಂಬ ಹುಳಿಹಿಟ್ಟಿನ ವಿಷಯದಲ್ಲಿ ಜಾಗರೂಕರಾಗಿರಿ. ೨ ಮರೆಯಾಗಿರುನ
ಯಾವದೂ ವ್ಯಕ್ತವಗದೆ ಇರುವದಿಲ್ಲ. ಹೊರಪಡದ ರಹಸ್ಯವೂ ಇಲ್ಲ. ೩ ಹೀಗಿರುವದರಿಂದ ನೀವು
ಕತ್ತಲಲ್ಲಿ ಹೇಳದಂಥದು ಬೆಳಕಿನಲ್ಲಿ ಕೇಳಲಾಗುವದು. ಮತ್ತು ನೀವು
ಕೋಣೆಗಳೊಳಗೆ ಕಿವಿಮಾತು ಆಡಿದ್ದು ಮಾಳಿಗೆಗಳ ಮೇಲೆ ಸಾರಲಾಗುವದು.

೧೨ ೪ ನನ್ನ ಸ್ನೇಹಿತರಾದ ನಿಮಗೆ ಹೇಳುತ್ತೇನೆ —ದೇಹವನ್ನು ಕೊಂದು ಅದಕ್ಕಿಂತ
ಹೆಚ್ಚಿನದೇನೂ ಮಾಡಲಾರದವರಿಗೆ ಹೆದರಬೇಡಿರಿ. ೫ ನೀವು ಯಾರಿಗೆ
ಹೆದರಬೇಕೋ ನಿಮಗೆ ತಿಳಿಸುತ್ತೇನೆ. ಕೊಂದ ಮೇಲೆ ನರಕದೊಳಗೆ ಹಾಕುವ
ಅಧಿಕಾರವುಳ್ಳವನಿಗೆ ಹೆದರಬೇಕು. ಹೌದು ಆತನಿಗೇ ಹೆದರಬೇಕೆಂದು ನಿಮಗೆ
ಹೇಳುತ್ತೇನೆ. ೬ ಐದು ಗುಬ್ಬಿಗಳನ್ನು ಎರಡು ದುಡ್ಡಿಗೆ ಮಾರುತ್ತಾರಲ್ಲ? ಆದಾಗ್ಯೂ ಅವುಗಳಲ್ಲಿ
ಒಂದಾದರೂ ದೇವರಿಗೆ ಮರೆತುಹೋಗುವದಿಲ್ಲ. ೭ ನಿಮ್ಮ ತಲೇಕೂದಲುಗಳು ಸಹ ಎಲ್ಲವೂ
ಎಣಿಕೆಯಾಗಿವೆ. ಹೆದರಬೇಡಿರಿ ಬಹಳ ಗುಬ್ಬಿಗಳಿಗಿಂತ ನೀವು ಹೆಚ್ಚಿನವರು. ೮ ನಾನು ನಿಮಗೆ
ಹೇಳುತ್ತೇನೆ, ಯಾವನು ಮನುಷ್ಯರ ಮುಂದೆ ತಾನು ಯೇಸುವಿನವನೆಂದು ಒಪ್ಪಿಕೊಳ್ಳುವನೋ
ಮನುಷ್ಯಕುಮಾರನು ಸಹ ಅವಣ್ನು ದೇವದೂತರ ಮುಂದೆ ತನ್ನವನೆಂದು ಒಪ್ಪಿಕೊಳ್ಳುವನು,
೯ ಆದರೆ ಯಾವನು ಮನುಷ್ಯರ ಮುಂದೆ ತಾನು ಯೇಸುವಿನವನಲ್ಲವೆಂದು ಹೇಳುವನೋ
ಅವನನ್ನು ನಾನು ದೇವದೂತರ ಮುಂದೆ ನನ್ನವನಲ್ಲವೆಂದು ಹೇಳುವೆನು. ೧೦ ಮನುಷ್ಯಕುಮಾರನ
ಮೇಲೆ ಏನಾದರೂ ಮಾತಾಡುವ ಪ್ರತಿಯೊಬ್ಬನಿಗೆ ಕ್ಷಮಾಪಣೆಯಾಗುವದು. ಆದರೆ
ಪವಿತ್ರಾತ್ಮನನ್ನು ದೂಷಿಸಿದವನಿಗೆ ಕ್ಷಮಾಪಣೆಯಿಲ್ಲ. ೧೧ ಅವರು ನಿಮ್ಮನ್ನು ಸಭಾಮಂದಿರಗಳ
ಅಧ್ಯಕ್ಷರ ಮುಂದಕ್ಕೂ ಅಧಿಕಾರಿಗಳ ಮುಂದಕ್ಕೂ ಅಧಿಪತಿಗಳ ಮುಂದಕ್ಕೂ ಹಿಡುಕೊಂಡು
ಹೋಗುವಾಗ ಹೇಗೆ ಉತ್ತರ ಕೊಡಬೇಕು? ಏನು ಉತ್ತರ ಕೊಡಬೇಕು? ಏನು ಹೇಳಬೇಕು
ಎಂದು ಚಿಂತೆಮಾಡಬೇಡಿರಿ. ೧೨ ಯಾಕಂದರೆ ನೀವು ಹೇಳತಕ್ಕದ್ದನ್ನು ಪವಿತ್ರಾತ್ಮನು ಆ
ಗಳಿಗೆಯಲ್ಲಿಯೇ ನಿಮಗೆ ಕಲಿಸಿಕೊಡುವನು ಅಂದನು.

ಯೇಸು ಬುದ್ಧಿಯಿಲ್ಲದ ಐಶ್ವರ್ಯವಂತನ ಸಾಮ್ಯವನ್ನು ಹೇಳಿ ದ್ರವ್ಯಾಶೆಯ
ವಿಷಯವಾಗಿಯೂ ಇಹಲೋಕದ ಚಿಂತೆಯ ವಿಷಯವಗಿಯೂ ಎಚ್ಚರಿಸಿದ್ದು.

(ಮತ್ತಾ . ೬ :೨೫- ೩೩).

೧೩ ಆಗ ಜನರಲ್ಲಿ ಒಬ್ಬನು — ಭೋಧಕನೇ, ತಂದೆಯ ಆಸ್ತಿಯನ್ನು ನನಗೆ ಪಾಲುಮಾಡುವಂತೆ
ನನ್ನ ಅಣ್ಣನಿಗೆ ಹೇಳು ಎಂದು ಆತನನ್ನು ಕೇಳಿಕೊಳ್ಳಲು ೧೪ ಆತನು — ಎಲಾ ಮನುಷ್ಯಾ,
ನನ್ನನ್ನು ನಿಮಗೆ ನ್ಯಾಯಾಧಿಪತಿಯನ್ನಾಗಿ ಅಥವಾ ಪಾಲುಮಾಡುವವನನ್ನಾಗಿ ನೇಮಿಸಿದವರಾರು
ಎಂದು ಅವನನ್ನು ಕೇಳಿ, ೧೫ ಜನರಿಗೆ –ಎಲ್ಲಾ ಲೋಭಕ್ಕೂ ಎಚ್ಚರಿಕೆಯಾಗಿದ್ದು ನಿಮ್ಮನ್ನು
ಕಾಪಾಡಿಕೊಳ್ಳಿರಿ. ಒಬ್ಬನಿಗೆ ಎಷ್ಟು ಆಸ್ತಿಯಿದ್ದರೂ ಅದು ಅವನಿಗೆ ಜೀವಾಧಾರವಾಗುವದಿಲ್ಲ.
ಎಂದು ಹೇಳಿ ಒಂದು ಸಾಮ್ಯವನ್ನು ಹೇಳಿದನು. ೧೬ ಅದೇನಂದರೆ ಒಬ್ಬಾನೊಬ್ಬ ಐಶ್ವರ್ಯವಂತನ
ಭೂಮಿಯು ಚೆನ್ನಾಗಿ ಬೆಳೆಯಿತು. ೧೭ ಆಗ ಅವನು ತನ್ನೊಳಗೆ — ನಾನೇನು ಮಾಡಲಿ?
ನನ್ನ ಬೆಳೆಯನ್ನು ತುಂಬಿಡುವದಕ್ಕೆ ನನಗೆ ಸ್ಥಳವಿಲ್ಲವಲ್ಲಾ ಎಂದು ಆಲೋಚಿಸಿ– ಒಂದು ಕೆಲಸ
ಮಾಡುತ್ತೇನೆ. ೧೮ ನನ್ನ ಕಣಜಗಳನ್ನು ಕೀಳಿಸಿ ಅವುಗಳಿಗಿಂತ ದೊಡ್ಡ ಕಣಜಗಳನ್ನುಕಟ್ಟಿಸುವೆನು.
ಅಲ್ಲಿ ನನ್ನ ಎಲ್ಲಾ ಧವಸಧಾನ್ಯಗಳನ್ನೂ ಸರಕುಗಳನ್ನು ತುಂಬಿಟ್ಟು. ೧೯ ನನ್ನ ಜೀವಾತ್ಮಕ್ಕೆ — ಜೀವವೇ,
ಅನೇಕ ವರುಷಗಳಿಗೆ ಬೇಕಾದಷ್ಟು ಸರಕು ನಿನಗೆ ಬಿದ್ದಿದೆ; ವಿಶ್ರಮಿಸಿಕೋ, ಊಟಮಾಡು.
ಕುಡಿ,ಸುಖಪಡು ಎಂದು ಹೇಳುವೆನು ಅಂದುಕೊಂಡನು. ೨೦ ಆದರೆ ದೇವರು ಅವನಿಗೆ —
ಬುದ್ಧಿಹೀನನು ನೀನು, ಈ ಹೊತ್ತು ರಾತ್ರಿ ನಿನ್ನ ಪ್ರಾಣವನ್ನು ನಿನ್ನ ಕಡೆಯಿಂದ ಕೇಳುವರು.
ಆಗ ನೀನು ಸಿದ್ಧಮಾಡಿಟ್ಟಿರುವದು ಯಾರಿಗಾಗುವದು ಎಂದು ಹೇಳಿದನು. ೨೧ ತನಗೋಸ್ಕರ

ದ್ರವ್ಯವನ್ನಿಟ್ಟುಕೊಂಡು ದೇವರ ವಿಷಯಗಳಲ್ಲಿ ಐಶ್ವರ್ಯವಂತನಾಗದೆ ಇರುವವನು ಅವನಂತಯೇ
ಇದ್ದಾನೆ ಅಂದನು.
೨೨ ಇದಲ್ಲದೆ ಆತನು ತನ್ನ ಶಿಷ್ಯರಿಗೆ ಹೇಳಿದ್ದೇನಂದರೆ — ಈ ಕಾರಣದಿಂದ
ಪ್ರಾರಧಾರಣೆಗೆ ಏನು ಊಟ ಮಾಡಬೇಕು? ದೇಹ ರಕ್ಷಣೆಗೆ ಏನು ಹೊದ್ದುಕೊಳ್ಳಬೇಕು
ಎಂದು ಚಿಂತೆಮಾಡಬೇಡಿರಿ ಎಂಬದಾಗಿ ನಿಮಗೆ ಹೇಳುತ್ತೇನೆ. ೨೩ ಊಟಕ್ಕಿಂತ ಪ್ರಾಣವು
ಉಡುಪಿಗಿಂತ ದೇಹವು ಮೇಲಾದದಷ್ಟೆ. ೨೪ ಕಾಗೆಗಳನ್ನು ಲಕ್ಷವಿಷ್ಟು ಯೋಚಿಸಿರಿ.ಅವು
ಬಿತ್ತುವದಿಲ್ಲ, ಕೊಯ್ಯುವದಿಲ್ಲ, ಅವುಗಳಿಗೆ ಉಗ್ರಾಣವೂ ಇಲ್ಲ, ಕಣಜವೂ ಇಲ್ಲ; ಅದಾಗ್ಯೂ
ದೇವರು ಅವುಗಳನ್ನು ಸಾಕಿಸಲಹುತ್ತಾನೆ. ಹಕ್ಕಿಗಳಿಗಿಂತ ನೀವು ಎಷ್ಟೋ ಹೆಚ್ಚಿನವರಲ್ಲವೇ.
೨೫ ಚಿಂತೆಮಾಡಿ ಮಾಡಿ ಒಂದು ಮೊಳ ಉದ್ದ ಬೆಳೆಯುವದು ನಿಮ್ಮಲ್ಲಿ ಯಾರಿಂದಾದೀತು?
೨೬ ಆದುದರಿಂದ ಕೇವಲ ಅಲ್ಪವಾದದ್ದನ್ನಾದರೂ ಮಾಡುವದಕ್ಕೆ ನೀವು ಅಶಕ್ತರಾಗಿರಲಾಗಿ
ಮಿಕ್ಕಾದದ್ದರ ವಿಷಯದಲ್ಲಿ ಚಿಂತೆಮಾಡುವದೇಕೆ? ೨೭ ಹೂವುಗಳು ಬೆಳೆಯುವ ರೀತಿಯನ್ನು
ಲಕ್ಷವಿಟ್ಟು ಯೋಚಿಸಿರಿ; ಅವು ದುಡಿಯುವದಿಲ್ಲ , ನೂಲುವದಿಲ್ಲ , ಆದರೂ ಈ
ಹೂವುಗಳೊಳಗೆ ಒಂದಕ್ಕಿರುವಷ್ಟು ಅಲಂಕಾರವು ಅರಸನಾದ ಸೊಲೊಮೋಣಿಗೆ ಸಹ ಅವನು
ತನ್ನ ಸಕಲ ವೈಭವದಿಂದಿರುವಾಗಲೂ ಇರಲಿಲ್ಲವೆಂದು ನಿಮಗೆ ಹೇಳುತ್ತೇನೆ. ೨೮ ಎಲೈ ಅಲ್ಪ
ವಿಶ್ವಾಸಿಗಳೇ, ಈ ಹೊತ್ತು ಇದ್ದು ನಾಳೆ ಒಲೆಯ ಪಾಲಾಗುವ ಅಡವಿಯ ಹುಲ್ಲಿಗೆ ದೇವರು ಹೀಗೆ
ಉಡಿಸಿದರೆ ಅದಕ್ಕಿಂತ ಎಷ್ಟೋ ಹೆಚ್ಚಾಗಿ ನಿಮಗೆ ಉಡಿಸಿ ತೊಡಿಸುವನು. ೨೯ ಏನು ಊಟ
ಮಾಡಬೇಕು? ಏನು ಕುಡಿಯಬೇಕು?ಎಂದು ತವಕಪಡಬೇಡಿರಿ, ಮತ್ತು ಅನುಮಾನ ಪಡಬೇಡಿರಿ.
೩೦ ಇವೆಲ್ಲವುಗಳ ಮೇಲೆ ಇಹಲೋಕದ ಜನಗಳು ತವಕಪಡುತ್ತಾರೆ. ಇವು ನಿಮಗೆ ಅವಶ್ಯವೆಂದು
ನಿಮ್ಮ ತಂದೆಗೆ ತಿಳಿದಿದೆ. ೩೧ ನೀವಾದರೋ ದೇವರ ರಾಜ್ಯಕ್ಕಾಗಿ ತವಕಪಡಿರಿ. ಇದರ
ಕೂಡ ಅವೂ ನಿಮಗೆ ದೊರಕುವವು. ೩೨ ಚಿಕ್ಕ ಹಿಂಡೇ, ಹೇದರಬೇಡ;ಆ ರಾಜ್ಯವನ್ನು ನಿಮಗೆ
ದಯಪಾಲಿಸುವುದಕ್ಕೆ ನಿಮ್ಮ ತಂದೆಯು ಸಂತೋಷವುಳ್ಳವನಾಗಿದ್ದಾನೆ. ೩೩ ನಿಮಗಿರುವದನ್ನು
ಮಾರಿಬಿಟ್ಟು ದಾನಾಕೊಡಿರಿ. ಹಳೇವಾದಂಥ ಹಮ್ಮೀಣಿಗಳನ್ನು ಮಾಡಿಕೊಂಡು ಪರಲೋಕದಲ್ಲಿ
ಲಯವಾಗದ ದ್ರವ್ಯವನ್ನು ಇಟ್ಟುಕೊಳ್ಳಿರಿ. ಅಲ್ಲಿ ಕಳ್ಳನು ಸಮೀಪಕ್ಕೆ ಬರುವದಿಲ್ಲ. ಅದು ನುಸಿ
ಹಿಡಿದು ನಾಶವಾಗುವದಿಲ್ಲ. ೩೪ ನಿಮ್ಮ ಗಂಟು ಇದ್ದಲ್ಲಿಯೇ ನಿಮ್ಮ ಮನಸ್ಸು ಇರುವದಷ್ಟೇ.

### ತನ್ನ ಶಿಷ್ಯರು ಯಾವಾಗಲೂ ಎಚ್ಚರವಾಡಿರಬೇಕೆಂಬದಾಗಿ ಯೇಸು ಎರಡು ಸಾಮ್ಯಗಳನ್ನು ಹೇಳಿದ್ದು.

(ಮತ್ತಾ ೨೪: ೪೨ -೫೧ )

೩೫ ನಿಮ್ಮ ನಡುಗಳು ಕಟ್ಟಿರಲಿ. ನಿಮ್ಮ ದೀವಟಿಗೆಗಳು ಉರಿಯುತ್ತಾ ಇರಲಿ. ೩೬ ನೀವಂತೂ
ತಮ್ಮ ಯಜಮಾನನು ಬಂದು ತಟ್ಟಿದ ಕೂಡಲೆ ಕದವನ್ನು ತೆರೆಯುವದಕ್ಕೆ ಸಿದ್ಧವಾಗಿದ್ದು ಮದುವೆ
ಊಟವನ್ನು ಯಾವಾಗ ತೀರಿಸಿಕೊಂಡು ಬರುವನೋ ಎಂದು ಅವನನ್ನು ಎದುರುನೋಡುತ್ತಿರುವ
ಮನುಷ್ಯರಂತಿರಿ. ೩೭ಯಜಮಾನನು ಬಂದು ಯಾವ ಯಾವ ಆಳುಗಳು ಎಚ್ಚರವಾಗಿರುವದನ್ನು
ಕಂಡುಕೊಳ್ಳುವನೋ ಆ ಆಳುಗಳೇ ಧನ್ಯರು. ಆತನೇ ನಡುಕಟ್ಟಿಕೊಂಡು ಅವರನ್ನು ಊಟಕ್ಕೆ
ಕೂಡ್ರಿ ಹತ್ತಿರಕ್ಕೆ ಬಂದು ಅವರಿಗೆ ಸೇವೆ ಮಾಡುವನು ಎಂದು ನಿಮಗೆ ಸತ್ಯವಾಗಿ ಹೇಳುತ್ತೇನೆ.
೩೮ ಎರಡನೆಯ ಜಾವದಲ್ಲಿಯಾಗಲಿ ಮೂರನೆಯ ಜಾವದಲ್ಲಿಯಾಗಲಿ ಬಂದಾತನಿಗೆ ಹಾಗೆ
ಕಾಣಿಸಿಕೊಂಡವರು ಧನ್ಯರು. ೩೯ ಕಳ್ಳನು ಬರುವ ಗಳಿಗೆಯು ಮನೆ ಯಜಮಾನನಿಗೆ
ತಿಳಿದಿದ್ದರೆ ಅವನು ಎಚ್ಚರವಾಗಿದ್ದು ತನ್ನ ಮನೆಗೆ ಕನ್ನಾ ಹಾಕಗೊಡಿಸುತ್ತಿರಲಿಲ್ಲವೆಂದು
ತಿಳುಕೊಳ್ಳಿರಿ. ನೀವು ಸಹ ಸಿದ್ಧವಾಗಿರ್ರಿ. ೪೦ ನೀವು ನೆನಸದ ಗಳಿಗೆಯಲ್ಲಿ ಮನುಷ್ಯಕುಮಾರನು
ಬರುತ್ತಾನೆ ಅಂದನು.
೪೧ ಆಗ ಪೇತ್ರನು – ಸ್ವಾಮಿ, ನೀನು ಈ ಸಾಮ್ಯವನ್ನು ನಮಗೆ ಮಾತ್ರ ಹೇಳುತ್ತೀಯೋ?
ಎಲ್ಲರಿಗೂ ಹೇಳುತ್ತೀಯೋ ಎಂಒಲು ಕೇಳಲು. ೪೨ ಸ್ವಾಮಿ ಹೇಳಿದ್ದೇನಂದರೆ — ಹೊತ್ತು
ಹೊತ್ತಿಗೆ ಆಶನಕ್ಕೆ ಬೇಕಾದದ್ದನ್ನು ಅಳೆದುಕೊಡುವದಕ್ಕಾಗಿ ಯಜಮಾನನು ತನ್ನ ಮನೆಯವರ
ಮೇಲೆ ನೇಮಿಸಿದ ನಂಬಿಗಸ್ತನೂ ವಿವೇಕಿಯೂ ಮನೆವಾರ್ತೆಯವನು ಯಾರು?
೪೩ ಯಜಮನನು ಬಮದು ಯಾವ ಆಳು ಹೀಗೆ ಮಾಡುವದನ್ನು ಕಾಣುವನೋ ಆ ಆಳು ಧನ್ಯನು.
೪೪ ಅಂಥವನನ್ನು ಅವನು ತನ್ನ ಎಲ್ಲಾ ಆಸ್ತಿಯ ಮೇಲೆ ನೇಮಿಸುವನು ಎಂದು ನಿಮಗೆ ಸತ್ಯವಾಗಿ
ಹೇಳುತ್ತೇನೆ. ೪೫ ಆದರೆ ಆ ಆಳು — ನನ್ನ ಯಜಮಾನು ಬರುವದಕ್ಕೆ ತಡ ಮಾಡುತ್ತಾನೆ ಅಂತ

ತನ್ನ ಮನಸ್ಸಿನಲ್ಲಿ ಅಂದುಕೊಂಡು ಗಂಡಾಳು ಹೆಣ್ಣಾಳುಗಳನ್ನು ಹೊಡೆಯುವದಕ್ಕೂ ತೊಡಗಿದರೆ,
೪೬ ಅವನು ನೆನಸದ ದಿನದಲ್ಲಿಯೂ ತಿಳಿಯದ ಗಳಿಗೆಯಲ್ಲಿಯೂ ಆ ಆಳಿನ ಯಜಮಾನನು
ಬಂದು ಅವನನ್ನು ಕಠಿನವಾಗಿ ಹೊಡಿಸಿ ಅಪನಂಬಿಗಸ್ತರಿಗೆ ಆಗತಕ್ಕ ಗತಿಯನ್ನು ಅವನಿಗೆ
ನೇಮಿಸುವನು. ೪೭ ತನ್ನ ಯಜಮಾನನ ಚಿತ್ತವನ್ನು ತಿಳಿದ ಆಳು ಸಿದ್ಧಮಾಡದೆ ಹೋದರೆ
ಅಥವಾ ಅವನ ಚಿತ್ತಕ್ಕನುಸಾರ ನಡೆಯದಿದ್ದರೆ ಅವನು ಬಹಳ ಪೆಟ್ಟು ತಿನ್ನುವನು. ೪೮ ತಿಳಿಯದೆ
ಪೆಟ್ಟುಗಳಿಗೆ ಯೋಗ್ಯವಾದದ್ದನ್ನು ನಡಿಸಿದವನು ಸ್ವಲ್ಪ ಪೆಟ್ಟು ತಿನ್ನುವನು. ಯಾವನಿಗೆ
ಬಹಳವಾಗಿ ಕೊಟ್ಟದೆಯೋ ಅವನ ಕಡೆಯಿಂದ ಬಹಳವಾಗಿ ನಿರೀಕ್ಷಿಸಲ್ಪಡುವದು. ಇದಲ್ಲದೆ
ಯಾವನ ವಶಕ್ಕೆ ಬಹಳವಾಗಿ ಒಪ್ಪಿಸಿದೆಯೋ ಅವನ ಕಡೆಯಿಂಒ ಇನ್ನೂ ಹೆಚ್ಚಾಗಿ ಕೇಳುವರು.

### ಯೇಸುವನ್ನು ಅನುಸರಿಸುವವರಿಗೆ ನಂತರ ವಿರೋಧವಿರುವದೆಂತಲೂ ನೂತನ ಕಾಲದ ಸೂಚನೆಗಳನ್ನು ಗುರುತು ಹಿಡಿಯಬೇಕೆಂತಲೂ ಬೋಧೆ

(ಮತ್ತಾ ೧೦ : ೩೪ – ೩೬; ೧೬; ೧-೩)

೪೯ ನಾನು ಬೆಂಕಿಯನ್ನು ಭೂಮಿಯ ಮೇಲೆ ಹಾಕಬೇಕೆಂದು ಬಂದೆನು. ಅದು ಇಷ್ಟರೊಳಗೆ
ಹತ್ತಿಕೊಂಡಿದ್ದರೆ ನನಗೆ ಎಷ್ಟೋ ಸಂತೋಷ. ೫೦ ಆದರೆ ನಾನು ಹೊಂದತಕ್ಕ ದೀಕ್ಷಾಸ್ನಾನ
ಒಂದುಂಟು,ಅದು ನೆರವೇರುವ ತನಕ ನಾನು ಎಷ್ಟೋ ಬಿಕ್ಕಟ್ಟಿನಲ್ಲಿದ್ದೇನೆ. ೫೧ ಭೂಲೋಕದಲ್ಲಿ
ಸಮಾಧಾನವನ್ನುಂಟು ಮಾಡುವದಕ್ಕೆ ಬಂದೆನೆಂದು ಭಾವಿಸುತ್ತೀರೋ?ಅದಕ್ಕೆ ಬರಲಿಲ್ಲ,
ಭೇಧವನ್ನುಂಟುಮಾಡುವದಕ್ಕೆ ಬಂದೆನೆಂದು ನಿಮಗೆ ಹೇಳುತ್ತೇನೆ. ೫೨ ಹೇಗೆಂದರೆ —
ಇಂದಿನಿಂದ ಒಂದೇ ಮನೆಯಲ್ಲಿರುವ ಐದು ಮಂದಿಯೊಳಗೆ ಇಬ್ಬರಿಗೆ ವಿರೋಧವಾಗಿ
ಮೂವರು, ಮೂವರಿಗೆ ವಿರೋಧವಾಗಿ ಇಬ್ಬರು ಈ ಮೇರೆಗೆ ಭೇಧವುಳ್ಳವರಾಗಿರುವರು.
೫೩ ಮಗನಿಗೆ ವಿರೋಧವಾಗಿ ತಂದೆಯು, ತಂದೆಗೆ ವಿರೋಧವಾಗಿ ಮಗನು, ಮಗಳಿಗೆ
ವಿರೋಧವಾಗಿ ತಾಯಿಯು, ತಾಯಿಗೆ ವಿರೋಧವಾಗಿ ಮಗಳು, ಸೊಸೆಗೆ ವಿರೋಧವಾಗಿ
ಅತ್ತೆಯು. ಅತ್ತೆಗೆ ವಿರೋಧವಾಗಿ ಸೊಸೆಯು ಭೇಧವುಳ್ಳವರಾಗಿರುವರು ಅಂದನು.
೫೪ ಇದಲ್ಲದೆ ಆತನು ಜನರೆಲ್ಲರಿಗೂ ಹೇಳಿದ್ದೇನಂದರೆ — ಪಶ್ಚಿಮ ದಿಕ್ಕಿನಲ್ಲಿ ಮೋಡ
ಏಳುವದನ್ನು ನೀವು ನೋಡಿದ ಕೂಡಲೆ ಮಳೆ ಬರುತ್ತದೆ ಅನ್ನುತ್ತೀರಿ; ಹಾಗೇ ಆಗುತ್ತದೆ. ೫೫ ದಕ್ಷಿಣ
ದಿಕ್ಕಿನ ಗಾಳಿ ಬೀಸಲಾಗಿ ಸೆಕೆ ಹುಟ್ಟುತ್ತದೆ ಅನ್ನುತ್ತೀರಿ. ಅದೂ ಆಗಿತ್ತದೆ. ೫೬ ಕಪಟಿಗಳು
ನೀವು, ಭೂಮ್ಯಾಕಾಶಗಳ ಭಾವವನ್ನು ಶೋಧಿಸುವದಕ್ಕೆ ನಿಮಗೆ ಗೊತ್ತಿರುವಲ್ಲಿ ಈ ಸಮಯವನ್ನು
ಶೋಧಿಸುವದಕ್ಕೆ ನಿಮಗೆ ಯಾಕೆ ಗೊತ್ತಿಲ್ಲ.
೫೭ ಇದಲ್ಲದೆ ಇಂಥಿಂಥದು ನ್ಯಾಯವಾದದ್ದೆಂದು ನೀವೇ ಯಾಕೆ
ತೀರ್ಮಾನಮಾಡಿಕೊಳ್ಳುವದಿಲ್ಲ.? ೫೮ ನೀನು ವಾದಿಯ ಸಂಗಡ ನ್ಯಾಯಾಧಿಪತಿಯ
ಮುಂದಕ್ಕೆ ಹೋಗುತ್ತಿರುವಾಗ ದಾರಿಯಲ್ಲಿಯೇ ತಂಟೆಹರಿಸಿಕೊಳ್ಳಲು ಪ್ರಯತ್ನಮಾಡು.
ಇಲ್ಲದಿದ್ದರೆ ಅವನು ನಿನ್ನನ್ನು ನ್ಯಾಯಾಧಿಪತಿಯ ಬಳಿಗೆ ಎಳಕೊಂಡು ಹೋದಾನು.
ನ್ಯಾಯಾಧಿಪತಿಯು ನಿನ್ನನ್ನು ಸೆರೆಯಜಮಾನನ ವಶಕ್ಕೆ ಒಪ್ಪಿಸಾನು. ಸೆರೇಯಜಮಾನನು
ನಿನ್ನನ್ನು ಸೆರೆಮನೆಯಲ್ಲಿ ಹಾಕಾನು. ೫೯ ನೀನು ಒಂದು ಕಾಸನ್ನಾದರೂ ನಿಲ್ಲಿಸಿಕೊಳ್ಳದೆ ಎಲ್ಲಾ
ಸಲ್ಲಿಸುವ ತನಕ ಅಲ್ಲಿಂದ ಬರುವದೇ ಇಲ್ಲವೆಂದು ನಿನಗೆ ಹೇಳುತ್ತೇನೆ ಅಂದನು.

### ಮನುಷ್ಯರು ದೇವರ ಕಡೆಗೆ ತಿರುಗದಿದ್ದರೆ ನಾಶವಾಗುತ್ತಾರೆಂದು ಭೋಧಿಸುವದಕ್ಕಾಗಿ ಯೇಸು ಗೊಡ್ಡು ಅಂಜೂರದ ಮರದ ಸಾಮ್ಯವನ್ನು ಹೇಳಿದ್ದು.

೧೩ ೧ ಅದೇ ಸಮಯದಲ್ಲಿ ಕೆಲವರು ಆತನ ಹತ್ತಿರದಲ್ಲಿದ್ದು — ಪುಲಾತನು ಗಲಿಲಾಯದವರ
ರಕ್ತವನ್ನು ಅವರ ಕೊಟ್ಟ ಬಲಿಗಳ ಸಂಗಡ ಬೆರಸಿದನೆಂದು ಆತನಿಗೆ ತಿಳಿಸಿದರು.
೨ ಅದಕ್ಕೆ ಆತನು ಅವರಿಗೆ ಆ ಗಲಿಲಾಯದವರು ಅಂಥ ಕೊಲೆಯನ್ನು ಅನುಭವಿಸಿದ್ದರಿಂದ
ಅವರನ್ನು ಎಲ್ಲಾ ಗಲಿಲಾಯದವರಿಗಿಂತ ಪಾಪಿಷ್ಠರೆಂದು ಭಾವಿಸುತ್ತೀರೋ? ೩ ಹಾಗೆ
ಭಾವಿಸಕೂಡದೆಂದು ನಿಮಗೆ ಹೇಳುತ್ತೇನೆ. ದೇವರ ಕಡೆಗೆ ತಿರುಗಿಕೊಳ್ಳದಿದ್ದರೆ ನೀವೆಲ್ಲರೂ
ಹಾಗೆಯೇ ಹಾಳಾಗಿ ಹೋಗುವಿರಿ. ೪ ಇಲ್ಲವೆ ಸಿಲೊವಾಮಿನಲ್ಲಿ ಬುರುಜು ಬಿದ್ದು ಸತ್ತ ಆ
ಹದಿನೆಂಟು ಮಂದಿಯು ಯೆರೂಸಲೇಮಿನಲ್ಲಿ ವಾಸವಾಗಿರುವ ಎಲ್ಲಾ ಮನುಷ್ಯರಿಗಿಂತಲೂ
ಅಪರಾಧಿಗಳೆಂದು ಭಾವಿಸುತ್ತೀರೋ? ೫ ಹಾಗಲ್ಲವೆಂದು ನಿಮಗೆ ಹೇಳುತ್ತೇನೆ. ದೇವರ ಕಡೆಗೆ
ತಿರುಗಿಕೊಳ್ಳದಿದ್ದರೆ ನೀವೆಲ್ಲರೂ ಅವರಂತೆ ಹಾಳಾಗಿ ಹೋಗುವಿರಿ ಎಂದು ಹೇಳಿದನು.

೬ ಆ ಮೇಲೆ ಆತನು ಒಂದು ಸಾಮ್ಯವನ್ನು ಹೇಳಿದನು. ಅದೇನಂದರೆ — ಒಬ್ಬಾನೊಬ್ಬನು
ತನ್ನ ದ್ರಾಕ್ಷಿಯ ತೋಟದಲ್ಲಿ ಒಂದು ಅಂಜೂರದ ಗಿಡವನ್ನು ನೆಡಸಿದನು. ತರುವಾಯ ಅವನು
ಅದರಲ್ಲಿ ಹಣ್ಣನ್ನು ಹುಡುಕುತ್ತಾ ಬಂದನು. ಸಿಕ್ಕಲಿಲ್ಲ. ೭ ಬಳಿಕ ಅವನು ತೋಟ ಮಾಡುವವನಿಗೆ
— ನೋಡು ನಾನು ಮೂರು ವರುಷದಿಂದಲೂ ಈ ಅಂಜೂರದ ಮರದನ್ನಿ ಹಣ್ಣನ್ನು ಹುಡುಕುತ್ತಾ
ಬಂದಿದ್ದೇನೆ. ಆದಜೂ ನನಗೆ ಸಿಕ್ಕಲಿಲ್ಲ. ಇದನ್ನು ಕಡಿದು ಹಾಕು. ಇದರಿಂದ ಭೂಮಿಯು ಯಾಕೆ
ಬಂಜೆಯಾಗಬೇಕು ಎಂದು ಹೇಳಿದನು. ೮ ಆದರೆ ತೋಟ ಮಾಡುವವನು — ಅಯ್ಯಾ ಈ ವರುಷವು
ಇದನ್ನು ಬಿಡು. ಅಷ್ಟರಲ್ಲಿ ನಾನು ಇದರ ಸುತ್ತಲು ಅಗಿದು ಗೊಬ್ಬರ ಹಾಕುತ್ತೇನೆ . ೯ ಮುಂದೆ ಹಣ್ಣು
ಬಿಟ್ಟರೆ ಸರಿ., ಇಲ್ಲದಿದ್ದರೆ ಇದನ್ನು ಕಡಿದುಹಾಕಬಹುದು ಎಂದು ಉತ್ತರ ಕೊಟ್ಟನು.

ಯೇಸು ಸಬ್ಬತ್ ದಿನದಲ್ಲಿ ಒಬ್ಬ ಹೆಂಗಸನ್ನು ಸ್ವಸ್ಥಮಾಡಿದ್ದು.

೧೦ ಒಂದಾನೊಂದು ಸಬ್ಬತ್ ದಿನದಲ್ಲಿ ಆತನು ಒಂದು ಸಭಾಮಂದಿರದೊಳಗೆ
ಉಪದೇಶಮಾಡುತ್ತಾ ಇದ್ದನು. ೧೧ ಅಲ್ಲಿ ಹದಿನೆಂಟು ವರುಷಗಳಿಂದ ದೆವ್ವ ಬಡಿದು ಮೈಯಲ್ಲಿ
ರೋಗವುಳ್ಳ ಒಬ್ಬ ಸ್ತ್ರೀಯು ಇದ್ದಳು. ಆಕೆಯು ನಡು ಬೊಗ್ಗಿ ಹೋಗಿ ಸ್ವಲ್ಪವಾದರೂ ಮೈಯನ್ನು
ಮೇಲಕ್ಕೆ ಇತ್ತಲಾರದೆ ಇದ್ದಳು. ೧೨ ಯೇಸು ಆಕೆಯನ್ನು ನೋಡಿ ಹತ್ತಿರಕ್ಕೆ ಕರೆದು ಆಕೆಗೆ
— ಅಮ್ಮಾ ನಿನಗೆ ರೋಗ ಬಿಗುಗಡೆಯಾಯಿತು ಎಂದು ಹೇಳಿ ಆಕೆಯ ಮೇಲೆ ತನ್ನ
ಕೈಗಳನ್ನಿಟ್ಟನು. ೧೩ ಇಟ್ಟಕೂಡಲೆ ಆಕೆ ನೆಟ್ಟಗಾದಳು. ದೇವರನ್ನು ಕೊಂಡಾಡಿದಳು ೧೪ ಆದರೆ
ಆ ಸಭಾಮಂಧಿರದ ಅಧಿಕಾರಿಯು ನಡೆದ ಸಂಗತಿಯನ್ನು ನೋಡಿ ಸಬ್ಬತ್ ದಿನದಲ್ಲಿ ಯೇಸು
ಸ್ವಸ್ಥ ಮಾಡಿದನಲ್ಲಾ ಎಂದು ರೋಷಗೊಂಡು ಜನರಿಗೆ — ಕೆಲಸ ಮಾಡುವದಕ್ಕೆ ಆರು ದಿನಗಳು
ಅವೆಯಷ್ಟೆ.ಆ ದಿವಸಗಳಲ್ಲಿ ಬಂದು ವಾಸಿಮಾಡಿಸಿಕೊಳ್ಳಿರಿ ಸಬ್ಬತ್ ದಿನದಲ್ಲಿ ಮಾತ್ರ ಬೇಡ
ಎಂದು ಹೇಳಿದನು. ೧೫ ಆ ಮಾತನ್ನು ಕೇಳಿ ಸ್ವಾಮಿಯು ಅವನಿಗೆ — ಕಪಟಿಗಳು ನೀವು
ನಿಮ್ಮಲ್ಲಿ ಪ್ರತಿಯೊಬ್ಬನು ಸಬ್ಬತ್ ದಿನದಲ್ಲಿ ತನ್ನ ಎತ್ತನ್ನಾಗಲಿ ಕತ್ತೆಯನ್ನಾಗಲಿ ಗೋದಲಿಯಿಂದ
ಬಿಚ್ಚಿ ನೀರು ಕುಡಿಸುವದಕ್ಕಾಗಿ ಹಿಡುಕೊಂಡು ಹೋಗುತ್ತಾನಲ್ಲವೇ. ೧೬ ಹಾಗಾದರೆ ಹದಿವೆಂಟು
ವರುಷಗಳ ತನಕ ಸೈತಾಣು ಕಟ್ಟಿ ಹಾಕಿದ್ದವಳೂ ಅಬ್ರಹೇಮನ ವಂಶದವಳೂ ಆಗಿರುವ ಈಕೆಯನ್ನು
ಸಬ್ಬತ್ ದಿನದಲ್ಲಿ ಈ ಕಟ್ಟಿನೊಳಗಿಂದ ಬಿಡಿಸಬಾರದೋ ಎಂದು ಉತ್ತರ ಕೊಟ್ಟನು. ೧೭ ಈ
ಮಾತುಗಳನ್ನು ಆತನು ಹೇಳುತ್ತಿರಲಾಗಿ ಆತನ ವಿರೋಧಿಗಳೆಲ್ಲರೂ ನಾಚಿಕೊಂಡರು. ಗುಂಪು
ಕೂಡಿದ್ದ ಜನರೆಲ್ಲಾ ಆತನಿಂದಾಗುತ್ತಿದ್ದ ಎಲ್ಲಾ ಮಹತ್ವದ ಕಾರ್ಯಗಳಿಗೆ ಸಂತೋಷಪಟ್ಟರು.

ದೇವರ ರಾಜ್ಯವು ಸಾಸಿವೆಕಾಳಿಗೂ ಹುಳಿಹಿಟ್ಟಿಗೂ ಸಮಾನವಾಗಿದೆ ಎಂಬುವ ಭೋಧೆ.

(ಮತ್ತಾ ೧೩. ೩೧- ೩೩, ಮಾರ್ಕ ೪; ೩೦ – ೩೨)

೧೮ ಆಲನು ಹೇಳಿದ್ದೇನಂದರೆ — ದೇವರ ರಾಜ್ಯವು ಯಾವದಕ್ಕೆ ಹೋಲಿಕೆಯಾಗಿದೆ?
೧೯ ಅದನ್ನು ನಾನು ಯಾಬದಕ್ಕೆ ಹೋಲಿಸಲಿ? ಅದು ಸಾಸಿವೆ ಕಾಳಿಗೆ ಹೋಲಿಕೆಯಾಗಿದೆ.
ಒಬ್ಬ ಮನುಷ್ಯನು ಅದನ್ನು ತೆಗೆದುಕೊಂಡು ಹೋಗಿ ತನ್ನ ತೋಟದಲ್ಲಿ ಹಾಕಿದನು. ಅದು ಬೆಳೆದು
ಮರವಾಯಿತು. ಮತ್ತು ಆಕಾಶದಲ್ಲಿ ಹಾರಾಡುವ ಪಕ್ಷಿಗಳು ಅದರ ಕೊಂಬೆಗಳಲ್ಲಿ ವಾಸಮಾಡಿದವು.
ಅಂದನು. ೨೦ ಆತನು ಇನ್ನೂ ಹೇಳಿದ್ದೇನಂದರೆ — ದೇವರ ರಾಜ್ಯವನ್ನು ನಾನು ಯಾವದಕ್ಕೆ
ಹೋಲಿಸಲಿ? ಅದು ಹುಳಿಹಿಟ್ಟಿಗೆ ಹೋಲಿಕೆಯಾಗಿದೆ. ೨೧ ಅದನ್ನು ಒಬ್ಬ ಹೆಂಗಸು ತಕ್ಕೊಂಡು
ಮೂರು ಸೇರು ಹಿಟ್ಟಿನಲ್ಲಿ ಕಲಸಿಡಲು ಆ ಹಿಟ್ಟೆಲ್ಲಾ ಹುಳಿಯಾಯಿತು ಅಂದನು.

ಇಕ್ಕಟ್ಟಾದ ಬಾಗಲಲ್ಲಿ ಪ್ರವೇಶಿಸಿ ಎಂಬುವ ಭೋಧೆ.

(ಮತ್ತಾ ೭ ೧೩,೧೪, ೮. ೧೧, ೧೨ )

೨೨ ಆತನು ಊರೂರಿಗೂ ಗ್ರಾಮ ಗ್ರಾಮಕ್ಕೂ ಹೋಗಿ ಉಪದೇಶ ಮಾಡುತ್ತಾ ಯೆರೂಸಲೇಮಿಗೆ
ಪ್ರಯಾಣ ಮಾಡುತ್ತಿದ್ದನು. ೨೩ ಆ ಕಾಲದಲ್ಲಿ ಒಬ್ಬನು — ಸ್ವಾಮಿ ರಕ್ಷಣೆ ಹೊಂದುವವರು
ಸ್ವಲ್ಪ ಜನರೋ ಎಂದು ಕೇಳಲು, ೨೪ ಆತನು ಅವರಿಗೆ — ಇಕ್ಕಟ್ಟಾದ ಬಾಗಿಲಿನಿಂದ ಒಳಕ್ಕೆ
ಹೋಗುವದಕ್ಕೆ ಹೆಣಗಾಡಿರಿ. ಬಹು ಜನ ಒಳಕ್ಕೆ ಹೋಗುವದಕ್ಕೆ ನೋಡುವರು. ಆದರೆ
ಅವರಿಂದಾಗುವದಿಲ್ಲ ಎಂದು ನಿಮಗೆ ಹೇಳುತ್ತೇನೆ. ೨೫ ಮನೇ ಯಜಮಾನನು ಎದ್ದು ಕದಾ
ಹಾಕಿಕೊಂಡ ಮೇಲೆ ನೀವು ಹೊರಗೆ ನಿಂತುಕೊಂಡು ಕದ ತಟ್ಟಿ — ಸ್ವಾಮೀ ನಮಗೆ ತೆರೆಯಿರಿ
ಎಂದು ಹೇಳುವದಕ್ಕೆ ತೊಡಗುವಾಗ ಅವನು — ನೀವು ಎಲ್ಲಿಯವರೋ? ನಿಮ್ಮ ಗುರುತು ನನಗಿಲ್ಲ

ಅಂದಾನು ೨೬ ಅದಕ್ಕೆ ನೀವು — ನಿನ್ನ ಸನ್ನಿಧಿಯಲ್ಲಿ ನಾವು ಊಟ ಮಾಡಿದೆವು. ಕುಡಿದೆವು,
ನಮ್ಮ ಬೀದಿಗಳಲ್ಲಿ ನೀನು ಉಪದೇಶ ಮಾಡಿದಿ. ಎಂದು ಹೇಳುವದಕ್ಕೆ ತೊಡಗೀರಿ. ೨೭ ಆದರೆ
ಅವನು — ನೀವು ಎಲ್ಲಿಯವರೋ? ನಿಮ್ಮ ಗುರುತು ನನಗಿಲ್ಲ. ಅಧರ್ಮಮಾಡುವ ನೀವೆಲ್ಲರೂ
ನನ್ನ ಕಡೆಯಿಂದ ಹೊರಟು ಹೋಗಿರಿ ಎಂದು ನಿಮಗೆ ಹೇಳುತ್ತೇನೆ ಅನ್ನುವನು. ೨೮ ಅಬ್ರಹಾಮ
ಇಸಾಕ ಯಾಕೋಬ ಇವರು ಮತ್ತು ಎಲ್ಲಾ ಪ್ರವಾದಿಗಳು ದೇವರ ರಾಜ್ಯದಲ್ಲಿರುವದನ್ನು ನಿಮ್ಮನ್ನು
ಮಾತ್ರ ಹೊರಗೆ ಹಾಕುವದನ್ನು ನೀವು ನೋಡುವಾಗ ನಿಮಗೆ ಗೋಳಾಟವೂ ಕಟಕಟನೆ ಹಲ್ಲು
ಕಡಿಯೋಣವೂ ಇರುವವು. ೨೯ ಇದಲ್ಲದೆ ಪೂರ್ವ ಪಶ್ಚಿಮ ಉತ್ತರ ದಕ್ಷಿಣಗಳಿಂದಲೂ ಜನರು
ಬಂದು ದೇವರ ರಾಜ್ಯದಲ್ಲಿಊಟಕ್ಕೆ ಕೂಡ್ರುವರು. ೩೦ ಇಗೋ ಕಡೆಯವರಾಗಿರುವ ಕೆಲವರು
ಮೊದಲಿನವರಾಗುವರು. ಮೊದಲಿನವರಾಗಿರುವ ಕೆಲವರು ಕಡೆಯವರಾಗುವರು ಅಂದನು.

### ಯೇಸು ಉಪರಾಜನಾದ ಹೆರೋದನನ್ನು ಕುರಿತು ಹೇಳಿದ್ದು. ಯರೂಸಲೇಮಿನ ವಿಷಯದಲ್ಲಿ ದುಖ ಪಟ್ಟಿದ್ದು.

(ಮತ್ತಾ ೨೩. ೩೭ – ೩೯ )

೩೧ ಅದೇ ಗಳಿಗೆಯಲ್ಲಿ ಕೆಲವು ಮಂದಿ ಪರಿಸಾಯರು ಹತ್ತಿರ ಬಂದು ಆತನಿಗೆ —
ನೀನು ಇಲ್ಲಿಂದ ಹೊರಟು ಹೋಗು, ಹೆರೋದನು ನಿನ್ನನ್ನು ಕೊಲ್ಲಬೇಕೆಂದಿದ್ದಾನೆ ಎಂದು
ಹೇಳಲು, ೩೨ ಆತನು ಅವರಿಗೆ — ನೀವು ಹೋಗಿ ಇಗೋ ನಾನು ಈಹೊತ್ತು ನಾಳೆ
ದೆವ್ವಗಳನ್ನು ಬಿಡಿಸುತ್ತಾ ರೋಗಗಳನ್ನು ವಾಸಿಮಾಡುತ್ತಾ ಇದ್ದು ಮೂರನೆಯ ದಿನದಲ್ಲಿ
ಸಿದ್ಧಿಗೆ ಬರುತ್ತೇನೆ ಎಂದು ಆ ನರಿಗೆ ಹೇಳಿರಿ. ೩೩ ಹೇಗೂ ನಾನು ಈ ಹೊತ್ತು ನಾಳೆ
ನಾಡಿದು ಸಂಚಾರ ಮಾಡಬೇಕು. ಪ್ರವಾದಿಯಾದವನು ಯೆರೂಸಲೇಮಿನಲ್ಲಿಯೇ ಹೊರತು
ಬೇರೆ ಪಟ್ಟಣದಲ್ಲಿ ಕೊಲ್ಲಲ್ಪಡಕೂಡದಷ್ಟೆ. ೩೪ ಯೆರೂಸಲೇಮೇ, ಯೆರೂಸಲೇಮೇ
ಪ್ರವಾದಿಗಳ ಪ್ರಾಣ ತೆಗೆಯುವವಳೇ, ದೇವರು ನಿನ್ನ ಬಳಿಗೆ ಕಳುಹಿಸಿ ಕೊಟ್ಟವರನ್ನು
ಕಲ್ಲೆಸೆದು ಕೊಲ್ಲುವವಳೇ , ಕೋಳಿ ತನ್ನ ಮರಿಗಳನ್ನು ರೆಕ್ಕೆಗಳ ಕೆಳಗೆ ಕೂಡಿಸಿಕೊಳ್ಳುವಂತೆ
ನಿನ್ನ ಮಕ್ಕಳನ್ನು ಕೂಡಿಸಿಕೊಳ್ಳುವದಕ್ಕೆ ನನಗೆ ಎಷ್ಟೋ ಸಾರಿ ಮನಸ್ಸಿತ್ತು ಆದರೆ ನಿಮಗೆ
ಮನಸ್ಸಿಲ್ಲದೆ ಹೋಯಿತು. . ೩೫ ನೋಡಿರಿ, ನಿಮ್ಮ ಆಲಯವುನಿಮಗೆ ಬರೀದಾಗಿ ಬಿಟ್ಟಿದೆ.
ಕರ್ತನ ಹೆಸರಿನಲ್ಲಿ ಬರುವವನಿಗೆ ಆಶೀರ್ವಾದ ಎಂದು ನೀವು ಹೇಳುವ ತನಕ ನೀವು ನನ್ನನ್ನು
ನೋಡುವದೇ ಇಲ್ಲವೆಂದು ನಿಮಗೆ ಹೇಳುತ್ತೇನೆ.

### ಒಬ್ಬ ಪ್ರಮುಖನ ಮನೆಯಲ್ಲಿ ಯೇಸು ಊಟಕ್ಕೆ ಕೂತಿದ್ದಾಗ ಕರಿಸಿಕೊಂಡವರಿಗೂ ಕರೆದವನಿಗೂ ಆತನು ಸಾಮ್ಯರೂಪವಾಗಿ ಉಪದೇಶಮಾಡಿದ್ದು.

(ಮತ್ತಾ. ೨೨.೨-೧೦ ಸರಿನೋಡಿರಿ)

೧೪ ೧ ಆತನು ಸಬ್ಬತ್‍ದಿನದಲ್ಲಿ ಫರಿಸಾಯರ ಮುಖ್ಯಸ್ಥರಲ್ಲಿ ಒಬ್ಬನ ಮನೆಗೆ ಊಟಕ್ಕೆ
ಹೋದಾಗ ಅವರು ಆತನನ್ನು ಹೊಂಚಿನೋಡುತ್ತಿದ್ದರು. ೨ ಆಗ ಯೇಸು ತನ್ನೆದುರಿಗೆ
ಜಲೋದರವುಳ್ಳ ಒಬ್ಬ ಮನುಷ್ಯನಿರುವದನ್ನು ನೋಡಿ— ೩ ಸಬ್ಬತ್‍ದಿನದಲ್ಲಿ ಸ್ವಸ್ಥಮಾಡುವದು
ಸರಿಯೋ? ಸರಿಯಲ್ಲವೋ ಎಂದು ಧರ್ಮೋಪದೇಶಕರನ್ನೂ ಫರಿಸಾಯರನ್ನೂ ಕೇಳಿದನು.
೪ ಅವರು ಸುಮ್ಮನೇ ಇರಲು ಆತನು ಅವನ ಕೈ ಹಿಡಿದು ಅವನಿಗೆ ವಾಸಿಮಾಡಿ ಕಳುಹಿಸಿ—
೫ ನಿಮ್ಮಲ್ಲಿ ಯಾವನೊಬ್ಬನ ಮಗನಾಗಲಿ ಎತ್ತಾಗಲಿ ಬಾವಿಯಲ್ಲಿ ಬಿದ್ದರೆ ಅವನು ತಡಮಾಡದೆ
ಸಬ್ಬತ್‍ದಿನದಲ್ಲಾದರೂ ಮೇಲಕ್ಕೆ ತೆಗೆಯುವದಿಲ್ಲವೇ ಎಂದು ಅವರನ್ನುಕೇಳಿದನು. ೬ ಅವರು
ಅದಕ್ಕೆ ಉತ್ತರಕೊಡಲಾರದೆ ಇದ್ದರು.
೭ ಊಟಕ್ಕೆ ಕರಿಸಿಕೊಂಡವರು ಪಙ್ತಿಯ ಮೊದಲನೆಯ ಸ್ಥಾನವನ್ನು ಆರಿಸಿಕೊಳ್ಳುವದನ್ನು
ನೋಡಿ ಯೇಸು ಒಂದು ಸಾಮ್ಯವನ್ನು ಹೇಳಿದನು, ಏನಂದರೆ— ೮ ಯಾವನಾದರೂ ನಿನ್ನನ್ನು
ಮದುವೇ ಊಟಕ್ಕೆ ಕರೆದರೆ ಪಙ್ತಿಯೊಳಗೆ ಮೊದಲನೆಯ ಸ್ಥಾನದಲ್ಲಿ ಕೂತುಕೊಳ್ಳಬೇಡ;
ಒಂದು ವೇಳೆ ನಿನಗಿಂತ ಮಾನವುಳ್ಳವನನ್ನು ಅವನು ಕರೆದಿರಬಹುದು, ೯ ಮತ್ತು ನಿನ್ನನ್ನೂ
ಅವನನ್ನೂ ಕರೆದವನು ಬಂದು—ಇವನಿಗೆ ಸ್ಥಳಬಿಡು ಎಂದು ನಿನಗೆ ಹೇಳುವಾಗ ನೀನು
ನಾಚಿಕೊಂಡು ಕಡೆಯಸ್ಥಾನದಲ್ಲಿ ಕೂತುಕೊಳ್ಳುವದಕ್ಕೆ ಹೋಗುವಿ. ೧೦ ಆದರೆ ಯಾವನಾದರೂ
ನಿನ್ನನ್ನು ಕರೆದಾಗ ನೀನು ಹೋಗಿ ಕಡೆಯ ಸ್ಥಾನದಲ್ಲಿ ಕೂತುಕೋ; ಹೇಗೆ ಮಾಡಿದರೆ ನಿನ್ನನ್ನು
ಕರೆದವನು ಬಂದು ನಿನ್ನನ್ನು ನೋಡಿ—ಸ್ನೇಹಿತನೇ, ಇನ್ನೂ ಮೇಲಕ್ಕೆ ಬಾ ಅನ್ನುವನು. ಆಗ

ನಿನ್ನ ಸಂಗಡ ಕೂತಿರುವವರೆಲ್ಲರ ಮುಂದೆ ನಿನಗೆ ಮಾನಬರುವದು. ೧೧ ತನ್ನನ್ನು ಹೆಚ್ಚಿಸಿಕೊಳ್ಳುವ
ಪ್ರತಿಯೊಬ್ಬನು ತಗ್ಗಿಸಲ್ಪಡುವನು; ತನ್ನನ್ನು ತಗ್ಗಿಸಿಕೊಳ್ಳುವವನು ಹೆಚ್ಚಿಸಲ್ಪಡುವನು ಅಂದನು.
೧೨ ಆತನು ತನ್ನನ್ನು ಊಟಕ್ಕೆ ಕರೆದವನಿಗೆ ಸಹ ಒಂದು ಮಾತು ಹೇಳಿದನು; ಅದೇನಂದರೆ—
ನೀನು ಮಧ್ಯಾಹ್ನದ ಊಟಕ್ಕೆ ಅಥವಾ ಸಾಯಂಕಾಲದ ಊಟಕ್ಕೆ ನಿನ್ನ ಸ್ನೇಹಿತರನ್ನಾಗಲಿ ನಿನ್ನ
ಅಣ್ಣತಮ್ಮಂದಿರನ್ನಾಗಲಿ ನಿನ್ನ ಬಂಧುಬಾಂಧವರನ್ನಾಗಲಿ ಐಶ್ವರ್ಯವಂತರಾದ ನೆರೆಯವರನ್ನಾಗಲಿ
ಕರೆಯಬೇಡ. ಒಂದು ವೇಳೆ ಅವರು ಸಹ ಪ್ರತಿಯಾಗಿ ನಿನ್ನನ್ನು ಕರೆದಾರು, ಮತ್ತು ನಿನಗೆ
ಮುಯ್ಯಿಗೆಮುಯ್ಯಾಗುವದು. ೧೩ ಅದರೆ ನೀನು ಔತಣ ಮಾಡಿಸುವಾಗ ಬಡವರು ಊನವಾದವರು
ಕುಂಟರು ಕುರುಡರು ಇಂಥವರನ್ನು ಕರೆ; ೧೪ ಅವರು ನಿನಗೆ ಮುಯ್ಯಿಗೆಮುಯ್ಯಿಮಾಡುವದಕ್ಕೆ
ಏನೂ ಇಲ್ಲದವರಾಗಿದ್ದರೂ ನೀತಿವಂತರು ಜೀವಿತರಾಗಿ ಎದ್ದುಬರುವಲ್ಲಿ ನಿನಗೆ
ಮುಯ್ಯಿಗೆಮುಯ್ಯಾಗುವದರಿಂದ ನೀನು ಧನ್ಯವಾಗುವಿ ಅಂದನು.
೧೫ ಊಟಕ್ಕೆ ಕೂತವರಲ್ಲಿ ಒಬ್ಬನು ಈ ಮಾತುಗಳನ್ನು ಕೇಳಿ—ದೇವರ ರಾಜ್ಯದಲ್ಲಿ
ಊಟಮಾಡುವವನೇ ಧನ್ಯನು ಎಂದು ಹೇಳಲು ೧೬ ಯೇಸು ಅವನಿಗೆ ಹೇಳಿದ್ದೇನಂದರೆ-
ಒಬ್ಬಾನೊಬ್ಬ ಮನುಷ್ಯನು ದೊಡ್ಡ ಅಡಿಗೆಮಾಡಿಸಿ ಅನೇಕರಿಗೆ ಊಟಕ್ಕೆ ಹೇಳಿದನು. ೧೭ ಆ
ಮೇಲೆ ಊಟದ ಹೊತ್ತಿಗೆ ಅವನು ಊಟಕ್ಕೆ ಹೇಳಿಸಿ ಕೊಂಡವರ ಬಳಿಗೆ—ಈಗ ಸಿದ್ಧವಾಗಿದೆ,
ಬರಬೇಕು ಎಂದು ಕರೆಯುವದಕ್ಕೆ ತನ್ನ ಆಳನ್ನು ಕಳುಹಿಸಿದನು. ೧೮ ಆದರೆ ಅವರೆಲ್ಲರೂ
ಕ್ಷಮಿಸಬೇಕೆಂದು ಒಂದೇ ಮನಸ್ಸಿನಿಂದ ಹೇಳುವದಕ್ಕೆ ತೊಡಗಿದರು. ಮೊದಲನೆಯವನು ಆ
ಆಳನ್ನು ನೋಡಿ—ಹೊಲವನ್ನು ಕ್ರಯಕ್ಕೆ ತಕ್ಕೊಂಡಿದ್ದೇನೆ, ಅದನ್ನು ಹೋಗಿ ನೋಡುವದಕ್ಕೆ
ನನಗೆ ಅಗತ್ಯವಿದೆ, ನನ್ನನ್ನು ಕ್ಷಮಿಸಬೇಕೆಂದು ಕೇಳಿಕೊಂಡೆನೆಂಬದಾಗಿ ಹೇಳು ಅಂದನು.
೧೯ ಮತ್ತೊಬ್ಬನು—ನಾನು ಐದು ಜೋಡಿ ಎತ್ತುಗಳನ್ನು ತಕ್ಕೊಂಡಿದ್ದೇನೆ, ಅವುಗಳನ್ನು
ಪರೀಕ್ಷಿಸುವದಕ್ಕೆ ಹೋಗುತ್ತೇನೆ, ನನ್ನನ್ನು ಕ್ಷಮಿಸಬೇಕೆಂದು ಕೇಳಿಕೊಂಡೆನೆಂಬದಾಗಿ
ಹೇಳು ಅಂದನು. ೨೦ ಇನ್ನೊಬ್ಬನು—ನಾನು ಮದುವೆಮಾಡಿ ಕೊಂಡಿದ್ದೇನೆ, ಆದ್ದರಿಂದ ನಾನು
ಬರುವದಕ್ಕಾಗುವದಿಲ್ಲ ಅಂದನು. ೨೧ ಆ ಆಳು ಬಂದು ತನ್ನ ಯಜಮಾನನಿಗೆ ಈ ಸಂಗತಿಗಳನ್ನು
ತಿಳಿಸಲು ಮನೇಯಜಮಾನನು ಸಿಟ್ಟುಗೊಂಡು ಆಳಿಗೆ—ನೀನು ತಟ್ಟನೆ ಈ ಊರಿನ
ಬೀದಿಬೀದಿಗೂ ಸಂದುಸಂದಿಗೂ ಹೋಗಿ ಬಡವರು ಊನವಾದವರು ಕುರುಡರು ಕುಂಟರು
ಇಂಥವರನ್ನು ಇಲ್ಲಿಗೆ ಕರಕೊಂಡು ಬಾ ಎಂದು ಹೇಳಿದನು. ೨೨ ಬಳಿಕ ಆ ಆಳು—ಅಯ್ಯಾ,
ನೀನು ಅಪ್ಪಣೆಕೊಟ್ಟಂತೆ ಮಾಡಿದ್ದಾಯಿತು; ಆದರೂ ಇನ್ನೂ ಸ್ಥಳವದೆ ಅಂದನು. ೨೩ ಆಗ ಆ
ಯಜಮಾನನು ತನ್ನ ಆಳಿಗೆ ಹೇಳಿದ್ದು—ನೀನು ಹಾದಿಗಳಿಗೂ ಬೇಲಿಗಳ ಬಳಿಗೂ ಹೋಗಿ
ಅಲ್ಲಿ ಸಿಕ್ಕಿದವರನ್ನು ಬಲವಂತಮಾಡಿ ಒಳಕ್ಕೆ ಕರಕೊಂಡು ಬಾ, ನನ್ನ ಮನೆ ತುಂಬಲಿ. ೨೪ ಆದರೆ
ಊಟಕ್ಕೆ ಹೇಳಿಸಿಕೊಂಡವರಲ್ಲಿ ಒಬ್ಬನಾದರೂ ನಾನು ಮಾಡಿಸಿದ ಅಡಿಗೆಯ ಸವಿಯನ್ನು
ನೋಡಬಾರದು ಎಂದು ನಿಮಗೆ ಹೇಳುತ್ತೇನೆ ಅಂದನು.

### ಯೇಸು ತನ್ನನ್ನು ಅನುಸರಿಸುವವರು ತಕ್ಕ ಆಲೋಚಿಸಿಮಾಡಿ ಕೊಂಡು ಬರಬೇಕೆಂದು ಸಾಮ್ಯರೂಪವಾಗಿ ಉಪದೇಶಿಸಿದ್ದು.

(ಮತ್ತಾ. ೧೦.೩೭-೩೯)

೨೫ ಬಹು ಜನರು ಗುಂಪುಗುಂಪಾಗಿಯೇಸುವಿನ ಸಂಗಡ ಹೋಗುತ್ತಾ ಇರಲು ಆತನು
ತಿರುಗಿಕೊಂಡು ಅವರಿಗೆ ಹೇಳಿದ್ದೇನಂದರೆ— ೨೬ ಯಾವನಾದರೂ ನನ್ನ ಬಳಿಗೆ ಬಂದು
ತನ್ನ ತಂದೆ ತಾಯಿ ಹೆಂಡತಿ ಮಕ್ಕಳು ಅಣ್ಣ ತಮ್ಮಂದಿರು ಅಕ್ಕತಂಗಿಯರು ಇವರನ್ನೂ ತನ್ನ
ಪ್ರಾಣವನ್ನು ಸಹ ಹಗೆಮಾಡಿದಿದ್ದರೆ ಅವನು ನನ್ನ ಶಿಷ್ಯನಾಗಿರಲಾರನು. ೨೭ ಯಾವನಾದರೂ ತನ್ನ
ಶಿಲುಬೆಯನ್ನು ಹೊತ್ತುಕೊಂಡು ನನ್ನ ಹಿಂದೆ ಬಂದ ಹೊರತು ಅವನು ನನ್ನ ಶಿಷ್ಯನಾಗಿರಲಾರನು.
೨೮ ನಿಮ್ಮಲ್ಲಿ ಯಾವನಾದರೂ ಒಂದು ಬುರುಜನ್ನು ಕಟ್ಟಿಸಬೇಕೆಂದು ಯೋಚಿಸಿದರೆ ಅವನು
ಮೊದಲು ಕೂತುಕೊಂಡು—ಅದಕ್ಕೆ ಎಷ್ಟು ಖರ್ಚು ಹಿಡಿದೀತು, ಅದನ್ನು ತೀರಿಸುವದಕ್ಕೆ
ಸಾಕಾಗುವಷ್ಟು ಹಣ ನನ್ನಲ್ಲಿ ಉಂಟೋ ಎಂದು ಲೆಕ್ಕಮಾಡುವದಿಲ್ಲವೇ? ೨೯ ಹೀಗೆ
ಲೆಕ್ಕಮಾಡಿದೆ ಅದಕ್ಕೆ ಅಸ್ತಿವಾರಹಾಕಿದ ಮೇಲೆ ಆ ಕೆಲಸವನ್ನು ಪೂರೈಸಲಾರದೆ
ಹೋದರೆ ನೋಡುವವರೆಲ್ಲರು— ೩೦ ಈ ಮನುಷ್ಯನು ಕಟ್ಟಿಸುವದಕ್ಕಂತೂ ತೊಡಗಿದನು,
ಕೆಲಸಪೂರೈಸಲಾರದೆ ಹೋದನು ಎಂದು ಅವನನ್ನು ಹಾಸ್ಯಮಾಡಾರು. ೩೧ ಇಲ್ಲವೆ ಯಾವ
ಅರಸನಾದರೂ ಮತ್ತೊಬ್ಬ ಅರಸನ ಸಂಗಡ ಯುದ್ಧಮಾಡುವದಕ್ಕೆ ಹೋಗುವಾಗ ತನ್ನ ಮೇಲೆ

ಇಪ್ಪತ್ತು ಸಾವಿರ ದಂಡು ತೆಗೆದುಕೊಂಡು ಬರುವವನನ್ನು ತಾನು ಹತ್ತು ಸಾವಿರ ದಂಡುನಿಂದ
ಎದುರಿಸುವದಕ್ಕೆ ಶಕ್ತನಾಗುವೆನೋ ಇಲ್ಲವೋ ಎಂದು ಕೂತುಕೊಂಡು ಆಲೋಚಿಸುವದಿಲ್ಲವೇ?
೩೨ ತಾನು ಶಕ್ತನಲ್ಲದಿದ್ದರೆ ಬರುವ ಅರಸನು ಇನ್ನೂ ದೂರದಲ್ಲಿರುವಾಗಲೇ ರಾಯಭಾರಿಗಳನ್ನು
ಕಳುಹಿಸಿ ಸಂಧಾನಕ್ಕೆ ಒಪ್ಪಂದವನ್ನು ಕೇಳಿಕೊಳ್ಳುವನು. ೩೩ ಹಾಗೆಯೇ ನಿಮ್ಮಲ್ಲಿ ಯಾವನೇ
ಆಗಲಿ ತನಗಿರುವದನ್ನೆಲ್ಲಾ ಬಿಟ್ಟುಬಿಡದೆ ಹೋದರೆ ಅವನು ನನ್ನ ಶಿಷ್ಯನಾಗಿರಲಾರನು.
೩೪ ಉಪ್ಪಂತೂ ಒಳ್ಳೆಯ ಪದಾರ್ಥವೇ; ಉಪ್ಪು ಸಹ ಸಪ್ಪಗಾದರೆ ಅದಕ್ಕೆ ಇನ್ನಾತರಿಂದ
ರುಚಿಬಂದೀತು? ೩೫ ಅದು ಭೂಮಿಗಾದರೂ ತಿಪ್ಪೆಗಾದರೂ ಉಪಯೋಗವಲ್ಲ; ಅದನ್ನು ಹೊರಗೆ
ಬಿಸಾಡುತ್ತಾರೆ. ಕೇಳುವದಕ್ಕೆ ಕಿವಿಯುಳ್ಳವನು ಕೇಳಲಿ ಅಂದನು.

### ದೇವರ ಕಡೆಗೆ ತಿರುಗಿದ ಪಾಪಿಯ ವಿಷಯದಲ್ಲಿ ಸಪರಲೋಕದಲ್ಲಿ ಆಗುವ ಸಂತೋಷವನ್ನು ಸೂಚಿಸುವ ಮೂರು ದೃಷ್ಟಾಂತಗಳು.

(ಮತ್ತಾ. ೧೮.೧೨-೧೪)

೧೫ ೧ ಯೇಸುವಿನ ಉಪದೇಶವನ್ನು ಕೇಳಬೇಕೆಂದು ಎಲ್ಲಾ ಸುಂಕದವರೂ ಪಾಪಿಗಳೂ
ಆತನ ಬಳಿಗೆ ಬರುತ್ತಾ ಇರಲು ೨ ಫರಿಸಾಯರೂ ಶಾಸ್ತ್ರಿಗಳೂ—ಇವನು ಪಾಪಿಗಳನ್ನು
ಸೇರಿಸಿಕೊಂಡು ಅವರ ಜೊತೆಯಲ್ಲಿ ಊಟಮಾಡುತ್ತಾನೆ ಎಂದು ಹೇಳಿಕೊಂಡು
ಗುಣುಗುಟ್ಟುತ್ತಿದ್ದರು.
೩ ಆಗ ಆತನು ಅವರಿಗೆ ಒಂದು ಸಾಮ್ಯವನ್ನು ಹೇಳಿದನು. ೪ ಅದೇನಂದರೆ—ನಿಮ್ಮೊಳಗೆ
ಯಾವ ಮನುಷ್ಯನಾದರೂ ತನಗೆ ನೂರು ಕುರಿಗಳಿರಲಾಗಿ ಅವುಗಳಲ್ಲಿ ಒಂದು ಕಳೆದುಹೋದರೆ
ಅವನು ತೊಂಭತ್ತೊಂಭತ್ತನ್ನು ಅಡವಿಯಲ್ಲಿ ಬಿಟ್ಟು ಕಳೆದುಹೋದದ್ದು ಸಿಕ್ಕುವ ತನಕ ಅದನ್ನು
ಹುಡುಕಿಕೊಂಡು ಹೋಗದೆ ಇದ್ದಾನೇ? ೫ ಸಿಕ್ಕಿದ ಮೇಲೆ ಅವನು ಸಂತೋಷಪಡುತ್ತಾ ತನ್ನ
ಹೆಗಲಿನ ಮೇಲೆ ಇಟ್ಟುಕೊಂಡು ೬ ಮನಗೆ ಬಂದು ಸ್ನೇಹಿತರನ್ನೂ ನೆರೆಹೊರೆಯವರನ್ನೂ
ಕೂಡಿಸಿ—ಕಳೆದುಹೋಗಿದ್ದ ಕುರಿ ಸಿಕ್ಕಿತು, ನನ್ನ ಸಂಗಡ ಸಂತೋಷಿಸಿರಿ ಎಂದು ಅವರಿಗೆ
ಹೇಳುವನಲ್ಲವೇ. ೭ ಅದರಂತೆ ದೇವರ ಕಡೆಗೆ ತಿರುಗಿಕೊಳ್ಳುವದಕ್ಕೆ ಅವಶ್ಯವಿಲ್ಲದ
ತೊಂಭತ್ತೊಂಭತ್ತು ಮಂದಿ ನೀತಿವಂತರಿಗಿಂತ ದೇವರ ಕಡೆಗೆ ತಿರುಗಿಕೊಳ್ಳುವ ಒಬ್ಬ ಪಾಪಿಯ
ವಿಷಯವಾಗಿ ಪರಲೋಕದಲ್ಲಿ ಸಂತೋಷವುಂಟಾಗುವದೆಂದು ನಿಮಗೆ ಹೇಳುತ್ತೇನೆ.
೮ ಯಾವ ಹೆಂಗಸು ತನ್ನಲ್ಲಿ ಹತ್ತು ಪಾವಲಿಗಳಿರಲಾಗಿ ಒಂದು ಪಾವಲಿ ಹೋದರೆ ದೀಪಾಹಚ್ಚಿ
ಮನೆಯನ್ನು ಗುಡಿಸಿ ಸಿಕ್ಕುವ ತನಕ ಅದನ್ನು ಎಚ್ಚರದಿಂದ ಹುಡುಕದೆ ಇದ್ದಾಳೂ? ೯ ಸಿಕ್ಕಿದ
ಮೇಲೆ ಆಕೆಯು ತನ್ನ ಗೆಣತಿಯರನ್ನೂ ನೆರೆಹೊರೆಯವರನ್ನೂ ಕೂಡಿಸಿ—ಹೋಗಿದ್ದ ಪಾವಲಿ
ಸಿಕ್ಕಿತು, ನನ್ನ ಸಂಗಡ ಸಂತೋಷಿಸಿರಿ ಎಂದು ಹೇಳುವಳಲ್ಲವೇ. ೧೦ ಅದರಂತೆ ಒಬ್ಬ ಪಾಪಿಯು
ದೇವರ ಕಡೆಗೆ ತಿರುಗಿಕೊಳ್ಳುವ ವಿಷಯದಲ್ಲಿ ದೇವದೂತರ ಮುಂದೆ ಸಂತೋಷವಾಗುವದೆಂದು
ನಿಮಗೆ ಹೇಳುತ್ತೇನೆ ಅಂದನು.
೧೧ ಇನ್ನೂ ಆತನು ಹೇಳಿದ್ದೇನಂದರೆ—ಒಬ್ಬಾನೊಬ್ಬ ಮನುಷ್ಯನಿಗೆ ಇಬ್ಬರು ಮಕ್ಕಳೀದ್ದರು.
೧೨ ಅವರಲ್ಲಿ ಕಿರಿಯುವನು ತಂದೆಗೆ—ಅಪ್ಪಾ, ಆಸ್ತಿಯಲ್ಲಿ ನನಗೆ ಬರತಕ್ಕ ಪಾಲನ್ನು ಕೊಡು
ಎಂದು ಕೇಳಿಕೊಳ್ಳಲು ತಂದೆಯು ಬದುಕನ್ನು ಅವರಿಗೆ ಹಂಚಿಕೊಟ್ಟನು. ೧೩ ಸ್ವಲ್ಪ ದಿವಸದ
ಮೇಲೆ ಆ ಕಿರೀಮಗನು ಎಲ್ಲಾ ಕೂಡಿಸಿ ಕೊಂಡು ದೂರದೇಶಕ್ಕೆ ಹೊರಟುಹೋಗಿ
ಅಲ್ಲಿ ಪಟಿಂಗನಾಗಿ ಬದುಕಿ ತನ್ನ ಆಸ್ತಿಯನ್ನು ಸೂರೆಮಾಡಿ ಬಿಟ್ಟನು. ೧೪ ಹೀಗೆ ಅವನು
ಎಲ್ಲಾ ಹಾಳುಮಾಡಿಕೊಂಡಮೇಲೆ ಆ ದೇಶದಲ್ಲೆಲ್ಲಾ ಘೋರವಾದ ಬರ ಬಂದು ಏನೂ
ಗತಿಯಿಲ್ಲದವನಾದನು. ೧೫ ಆಗ ಅವನು ಹೋಗಿ ಆ ದೇಶದ ನಿವಾಸಿಗಳೊಳಗೆ ಒಬ್ಬನಲ್ಲಿ
ಸೇರಿಕೊಂಡನು; ಆ ಮನುಷ್ಯನು ಹಂದಿಗಳನ್ನು ಮೇಯಿಸುವದಕ್ಕೆ ಅವನನ್ನು ತನ್ನ
ಹೊಲಗಳಿಗೆ ಕಳುಹಿಸಿದನು. ೧೬ ಹೀಗಿರಲಾಗಿ ಅವನು ಹಂದಿ ತಿನ್ನುತ್ತಿದ್ದ ಕಾಯಿಗಳನ್ನಾದರೂ
ತಿಂದು ಹಸಿವನ್ನು ತೀರಿಸಿಕೊಳ್ಳಬೇಕೆಂದು ಆಶೆಪಟ್ಟನು; ಆದರೂ ಯಾರೂ ಅವನಿಗೆ
ಕೊಡಲಿಲ್ಲ. ೧೭ ಆಗ ಅವನಿಗೆ ಬುದ್ಧಿಬಂದು ಅವನು—ನನ್ನ ತಂದೆಯ ಬಳಿಯಲ್ಲಿ ಎಷ್ಟೋ
ಮಂದಿ ಕೂಲಿಯಾಳುಗಳಿಗೆ ಬೇಕಾದಷ್ಟು ಆಹಾರವದೆ; ನಾನಾದರೋ ಇಲ್ಲಿ ಹಸಿವಿನಿಂದ
ಸಾಯುತ್ತೇನೆ. ೧೮ ನಾನು ಎದ್ದು ನನ್ನ ತಂದೆಯ ಬಳಿಗೆ ಹೋಗಿ ಅವನಿಗೆ—ಅಪ್ಪಾ,
ಪರಲೋಕಕ್ಕೆ ವಿರೋಧವಾಗಿಯೂ ನಿನ್ನ ಮುಂದೆಯೂ ಪಾಪ ಮಾಡಿದ್ದೇನೆ; ಇನ್ನು ನಾನು ನಿನ್ನ
ಮಗನೆನಿಸಿಕೊಳ್ಳುವದಕ್ಕೆ ಯೋಗ್ಯನಲ್ಲ; ೧೯ ನನ್ನನ್ನು ನಿನ್ನ ಕೂಲಿಯಾಳುಗಳಲ್ಲಿ ಒಬ್ಬನಂತೆ

ಮಾಡು ಎಂದು ಹೇಳುವೆನು ಅಂದುಕೊಂಡು ಎದ್ದು ತನ್ನ ತಂದೆಯ ಕಡೆಗೆ ಬಂದನು. ೨೦ ಅವನು
ಇನ್ನೂ ದೂರದಲ್ಲಿರುವಾಗ ಅವನ ತಂದೆಯು ಅವನನ್ನು ಕಂಡು ಕನಿಕರಪಟ್ಟು ಓಡಿಬಂದು
ಅವನ ಕೊರಳನ್ನು ಅಪ್ಪಿಕೊಂಡು ಅವನಿಗೆ ಬಹಳವಾಗಿ ಮುದ್ದಿಟ್ಟನು. ೨೧ ಆದರೂ ಮಗನು
ಅವನಿಗೆ—ಅಪ್ಪಾ, ಪರಲೋಕಕ್ಕೆ ವಿರೋಧವಾಗಿಯೂ ನಿನ್ನ ಮುಂದೆಯೂ ಪಾಪಮಾಡಿದ್ದೇನೆ;
ಇನ್ನು ನಾನು ನಿನ್ನ ಮಗನೆನಿಸಿ ಕೊಳ್ಳುವದಕ್ಕೆ ಯೋಗ್ಯನಲ್ಲ— ಎಂದು ಹೇಳಲು ೨೨ ತಂದೆಯು
ತನ್ನ ಆಳುಗಳಿಗೆ—ಶ್ರೇಷ್ಠವಾದ ನಿಲುವಂಗಿಯನ್ನು ತಟ್ಟನೆ ತಂದು ಇವನಿಗೆ ತೊಡಿಸಿ; ಇವನ
ಕೈಗೆ ಉಂಗುರವನ್ನು ಇಡಿರಿ; ಕಾಲಿಗೆ ಜೋಡು ಮೆಡಿಸಿರಿ; ೨೩ ಕೊಬ್ಬಿಸಿದ ಆ ಕರುವನ್ನು
ತಂದು ಕೊಯ್ಯಿರಿ; ಹಬ್ಬಮಾಡೋಣ, ಉಲ್ಲಾಸಪಡೋಣ. ೨೪ ಈ ನನ್ನ ಮಗನು ಸತ್ತವನಾಗಿದ್ದನು,
ತಿರಿಗಿ ಬದುಕಿ ಬಂದನು; ಪೋಲಿಹೋಗಿದ್ದನು, ಸಿಕ್ಕಿದನು ಎಂದು ಹೇಳಿದನು. ಆಗ ಅವರು
ಉಲ್ಲಾಸಪಡುವದಕ್ಕೆ ತೊಡಗಿದರು. ೨೫ ಆದರೆ ಅವನ ಹಿರೀಮಗನು ಹೊಲದಲ್ಲಿದ್ದನು.
ಅವನು ಮನೆಯ ಹತ್ತಹತ್ತರಕ್ಕೆ ಬರುತ್ತಿರುವಾಗ ವಾದ್ಯನರ್ತನಗಳನ್ನು ಕೇಳಿ ೨೬ ಆಳುಗಳಲ್ಲಿ
ಒಬ್ಬನನ್ನು ತನ್ನ ಬಳಿಗೆ ಕರೆದು—ಇದೇನು ಎಂದು ವಿಚಾರಿಸಿದನು. ೨೭ ಆಳು ಅವನಿಗೆ—ನಿನ್ನ
ತಮ್ಮ ಬಂದಿದ್ದಾನೆ; ಇವನು ಸುರಕ್ಷಿತವಾಗಿ ಬಂದದ್ದರಿಂದ ನಿನ್ನ ತಂದೆಯು ಆ ಕೊಬ್ಬಿಸಿದ
ಕರುವನ್ನು ಕೊಯ್ಸಿದ್ದಾನೆ ಎಂದುಹೇಳಿದನು. ೨೮ ಇದನ್ನು ಕೇಳಿ ಅವನಿಗೆ ಸಿಟ್ಟುಬಂದು ಒಳಕ್ಕೆ
ಹೋಗಲೊಲ್ಲದೆ ಇದ್ದನು. ಆಗ ಅವನ ತಂದೆಯು ಹೊರಗೆ ಬಂದು ಅವನನ್ನು ಬೇಡಿಕೊಂಡನು.
೨೯ ಆದರೆ ಅವನು ತನ್ನ ತಂದೆಗೆ—ನೋಡು, ಇಷ್ಟು ವರುಷ ನಿನಗೆ ಸೇವೆ ಮಾಡಿದ್ದೇನೆ, ಮತ್ತು
ನಾನು ನಿನ್ನ ಒಂದಪ್ಪಣೆಯನ್ನಾದರೂ ಎಂದೂ ಮೀರಲಿಲ್ಲ; ಆದರೂ ನಾನು ನನ್ನ ಸ್ನೇಹಿತರ ಸಂಗಡ
ಉಲ್ಲಾಸಪಡುವದಕ್ಕಾಗಿ ನೀನು ಎಂದೂ ನನಗೆ ಒಂದು ಆಡನ್ನಾದರೂ ಕೊಡಲಿಲ್ಲ. ೩೦ ಆದರೆ
ಸೂಳೆಯರನ್ನು ಕಟ್ಟಿಕೊಂಡು ನಿನ್ನ ಬದುಕನ್ನು ನುಂಗಿಬಿಟ್ಟ ಈ ನಿನ್ನ ಮಗನು ಬಂದಾಗ ಕೊಬ್ಬಿಸಿದ
ಕರುವನ್ನು ಇವನಿಗೆ ಕೊಯ್ಸಿದಿ ಎಂದು ಉತ್ತರಕೊಟ್ಟನು. ೩೧ ಅದಕ್ಕೆ ತಂದೆಯು—ಕಂದಾ, ನೀನು
ಯಾವಾಗಲೂ ನನ್ನ ಸಂಗಡ ಇದ್ದೀ, ಮತ್ತು ನನ್ನದೆಲ್ಲಾ ನಿನ್ನದೇ. ೩೨ ಆದರೆ ಉಲ್ಲಾಸಪಡುವದೂ
ಸಂತೋಷಗೊಳ್ಳುವದೂ ನ್ಯಾಯವಾದದ್ದೇ; ಯಾಕಂದರೆ ಈ ನಿನ್ನ ತಮ್ಮ ಸತ್ತವನಾಗಿದ್ದನು, ತಿರಿಗಿ
ಬದುಕಿ ಬಂದನು; ಪೋಲಿಹೋಗಿದ್ದನು, ಸಿಕ್ಕಿದನು ಎಂದು ಹೇಳಿದನು.

## ಮುಂದಿನ ಕಾಲಕ್ಕೆ ಸಿದ್ಧ ಮಾಡಿಕೊಂಡ ಕಳ್ಳನಾದ ಮನೆ ವಾರ್ತೆಯವನ ಸಾಮ್ಯ

೧೬ ೧ ಯೇಸು ತನ್ನ ಶಿಷ್ಯರಿಗೆ ಹೇಳಿದ್ದೇನಂದರೆ, — ಐಶ್ವರ್ಯವಂತನಾದ ಒಬ್ಬ
ಮನುಷ್ಯನಿಗೆ ಒಬ್ಬ ಮನೆವಾರ್ತೆಯವನಿದ್ದನು . ಇವನ ವಿಷಯವಾಗಿ ಯಜಮಾನನ
ಬಳಿಯಲ್ಲಿ — ಇವನು ನಿನ್ನ ಆಸ್ತಿಯನ್ನು ಹಾಳುಮಾಡುತ್ತಾ ಇದ್ದಾವೆ ಎಂದು ಯಾರೋ
ದೂರು ಹೇಳಿರಲಾಗಿ , ೨ ಯಜಮಾನನು ಅವನನ್ನು ಕರೆದು — ಇದೇನು ನಾನು ನಿನ್ನ
ವಿಷಯದಲ್ಲಿ ಕೇಳುವ ಸಂಗತಿ? ನಿನ್ನ ಮನೆವಾರ್ತೆಯ ಲೆಕ್ಕವನ್ನು ಒಪ್ಪಿಸು. ನೀನು ಇನ್ನು
ಮನೆವಾರ್ತೆಯವನಾಗಿರುವದಿಲ್ಲ ಎಂದು ಹೇಳಿದನು. ೩ ಹೀಗಿರಲಾಗಿ ಆ ಮನೆವಾರ್ತೆಯವನು
— ನಾನೇನು ಮಾಡಲಿ? ನನ್ನ ಯಜಮಾನನು ನನ್ಇಂಒ ಈ ಮನೆವಾರ್ತೆ ಕೆಲಸವನ್ನು
ತೆಗೆದುಬಿಡುತ್ತಾನಲ್ಲಾ. ಅಗಿಯುವದಕ್ಕೆ ನನಗೆ ಬಲವಿಲ್ಲ. ಬಿಕ್ಷಾ ಬೇಡುವದಕ್ಕೆ ನನಗೆ
ನಾಚಿಕೆಯಾಗುತ್ತದೆ. ೪ ಈ ಮನೆವಾರ್ತೆ ಕೆಲಸದಿಂದ ನನ್ನನ್ನು ತೆಗೆದ ಮೇಲೆ ಜನರು ನನ್ನನ್ನು
ತಮ್ಮ ಮನೆಯೊಳಗೆ ಸೇರಿಸಿಕೊಳ್ಳುವಂತೆ ನಾನು ಮಾಡಬೇಕಾದದು ಗೊತ್ತಾಯಿತುಎಂದು
ತನೊಳ್ಳಗೆ ಅಂದುಕೊಂಡು, ೫ ತನ್ನ ಯಜಮಾನನ ಸಾಲಗಾರರಲ್ಲಿ ಪ್ರತಿಯೊಬ್ಬನನ್ನು ಕರೆದು
ಮೊದಲನೆಯವನನ್ನು — ನೀನು ನನ್ನ ಯಜಮಾನನಿಗೆ ಏನು ಕೊಡಬೇಕು ಎಂದು ಕೇಳಲು
೬ ಅವನು ನೂರು ಬುದ್ದಲಿ ಎಣ್ಣೆ ಎಂದಾಗ ಅವನಿಗೆ – ಈ ನಿನ್ನ ಪತ್ರವನ್ನು ತೆಗೆದುಕೊಂಡು
ಬೇಗ ಕೂತುಕೊಂಡು ಐವತ್ತು ಬುದ್ದಲಿ ಅಂತ ಬರಿಎಂದು ಹೇಳಿದನು. ೭ ಬಳಿಕ ಮತ್ತೊಬ್ಬನನ್ನು
ನೀನು ಏನು ಕೊಡಬೇಕು ಎಂದು ಕೇಳಲು ಅವನು –ನೂರು ಖಂಡಗ ಗೋದಿ ಅಂದಾಗ
ಅವನಿಗೆ ಈ ನಿನ್ನ ಪತ್ರವನ್ನು ತೆಗೆದುಕೊಂಡು ಎಂಬತ್ತು ಅಂತ ಬರಿ ಎಂದು ಹೇಳಿದನು.
೮ ಯಜಮಾನನು ಇದನ್ನು ಕೇಳಿ ಅನ್ಯಾಯಗಾರನಾದ ಆ ಮನೆವಾರ್ತೆಯವನನ್ನು – ಇವನು ಜಾಣತನ
ಮಾಡಿದನು ಎಂದು ಹೊಗಳಿದನು. ಯಾಕಂದರೆ ಲೌಕೀಕರು ತಮ್ಮಂಥವರ ವಿಷಯದಲ್ಲಿ ಬೆಳಕಿನ
ರಾಜ್ಯದವರಿಗಿಂತಲೂ ಜಾಣರಾಗಿದ್ದಾರೆ. ೯ ಅನ್ಯಾಯದ ಧನದ ಮೂಲವಾಗಿ ನಿಮಗೆ ಸ್ನೇಹಿತರನ್ನು
ಮಾಡಿಕೊಳ್ಳಿರಿ. ಹೀಗೆ ಮಾಡಿದರೆ ಅದು ನಿಮ್ಮ ಕೈ ಬಿಟ್ಟು ಹೋದಾಗ ಅವರು ನಿಮ್ಮನ್ನು
ಶಾಶ್ವತವಾದ ವಾಸಸ್ಥಾನಗಳಲ್ಲಿ ಸೇರಿಸಿಕೊಳ್ಳುವರು ಎಂದು ನಾನು ನಿಮಗೆ ಹೇಳುತ್ತೇನೆ.

೧೦ ಸ್ವಲ್ಪವಾದದರಲ್ಲಿ ನಂಬಿಗಸ್ತವಾದವನು ಬಹಳವಾದದರಲ್ಲಿಯೂ ನಂಬಿಗಸ್ತವಾಗುವನು.
೧೧ ಹೀಗಿರುವದರಿಂದ ಅನ್ಯಾಯದ ಧನದ ವಿಷಯದಲ್ಲಿ ನೀವು ನಂಬಿಗಸ್ತರಲ್ಲದವರಾದರೆ
ನಿಜವಾದ ಧನವನ್ನು ನಿಮ್ಮ ವಶಕ್ಕೆ ಯಾರು ಕೊಟ್ಟಾರು? ೧೨ ಮತ್ತೊಬ್ಬನ ಸೊತ್ತಿನವಿಷಯದಲ್ಲಿ
ನೀವು ನಂಬಿಗಸ್ತರಲ್ಲದವರಾದರೆ ನಿಮ್ಮದನ್ನು ನಿಮಗೆ ಯಾರು ಕೊಟ್ಟಾರು? ೧೩ ಯಾವ
ಆಳಾದರೂ ಇಬ್ಬರು ಯಜಮಾನನಿಗೆ ಸೇವೆ ಮಾಡಲಾರನು. ಅವನು ಒಬ್ಬನನ್ನು ದ್ವೇಷಿಸಿ
ಮತ್ತೊಬ್ಬನನ್ನುಪ್ರೀತಿಸುವನು.ಇಲ್ಲವೆ ಒಬ್ಬನನ್ನು ಹೊಂದಿಕೊಂಡು ಮತ್ತೊಬ್ಬನನ್ನು ತಾತ್ಸಾರ
ಮಾಡುವನು. ನೀವು ದೇವರನ್ನೂ ಧನವನ್ನೂ ಕೂಡ ಸೇವಿಸಲಾರಿರಿ ಅಂದನು.

## ಯೇಸು ನುಡಿದ ನಾನಾ ವಚನಗಳು.

೧೪ ಫರಿಸಾಯರು ಈ ಮಾತುಗಳನ್ನೆಲ್ಲಾ ಕೇಳಿತಾವು ಹಣ ದಾಸೆಯುಳ್ಳವರಾಗಿದ್ದರಿಂದ
ಹಾಸ್ಯ ಮಾಡಿದರು. ೧೫ ಆಗ ಆತನು ಅವರಿಗೆ ಹೇಳಿದ್ದೇನಂದರೆ — ಮನುಷ್ಯರ ಮುಂದೆ
ನೀತಿವಂತರೆಂದು ತೋರಿಸಿಕೊಳ್ಳುವವರುನೀವು. ಆದರೆ ದೇವರು ನಿಮ್ಮ ಹೃದಯಗಳನ್ನು
ತಿಳುಕೊಂಡಿದ್ದಾನೆ. ಮನುಷ್ಯರಲ್ಲಿ ಶ್ರೇಷ್ಠವೆನಿಸಿಕೊಳ್ಳುವಂಥದು ದೇವರ ದೃಷ್ಠಿಯಲ್ಲಿ
ಅಸಹ್ಯವಾಗಿದೆ. ೧೬ ಧರ್ಮಶಾಸ್ತ್ರವೂ ಪ್ರವಾದಿಗಳೂ ಯೋಹಾನನ ತನಕವೇ. ಈಚೆಗೆ
ದೇವರ ರಾಜ್ಯವು ಸಾರಲ್ಪಡುತ್ತಾ ಇದೆ. ಅದರಲ್ಲಿ ಸಕಲರೂ ಬಲಾತ್ಕಾರವಾಗಿ ನುಗ್ಗುತ್ತಾರೆ.
೧೭ ಧರ್ಮಶಾಸ್ತ್ರದೊಳಗಿನ ಒಂದು ಗುಡುಸಾದರೂ ಬಿದ್ದುಹೋಗುವದಕ್ಕಿಂತಲೂ ಆಕಾಶವೂ
ಭೂಮಿಯೂ ಅಳಿದುಹೋಗುವದು ಸುಲಭ. ೧೮ ತನ್ನ ಹೆಂತಿಯನ್ನು ಬಿಟ್ಟು ಬೇರೊಬ್ಬಳನ್ನು
ಮದುವೆ ಮಾಡಿಕೊಳ್ಳುವ ಪ್ರತಿಯೊಬ್ಬನು ವ್ಯಬಿಚಾರ ಮಾಡುವವನಾಗಿದ್ದಾನೆ. ಮತ್ತು ಗಂಡ
ಬಿಟ್ಟವಳನ್ನು ಮದುವೆ ಮಾಡಿಕೊಳ್ಳುವವನು ವ್ಯಬಿಚಾರ ಮಾಡುವವನಾಗಿದ್ದಾನೆ

## ಭೋಗ ಪುರುಷನು ಭಿಕ್ಷಗಾರನು ಇವರ ದೃಷ್ಟಾಂತ

೧೯ ಐಶ್ವರ್ಯವಂತನಾದ ಒಬ್ಬ ಮನುಷ್ಯನಿದ್ದನು. ಅವನು ಸಕಲಾತಿ ನಯವಾದ ನಾರುಮಡಿ
ಮುಂತಾದ ವಸ್ತ್ರಗಳನ್ನು ಧರಿಸಿಕೊಂಡು ಪ್ರತಿದಿನವು ವೈಭವದೊಡನೆ ಸುಖಸಂತೋಷ
ಪಡುತ್ತಿದ್ದನು. ೨೦ ಅವನ ಮನೇ ಬಾಗಲಲ್ಲಿ ಲಾಜರನೆಂಬ ಒಬ್ಬ ಬಿಕ್ಷಗಾರನು ಬಿದ್ದು ಕೊಂಡಿದ್ದನು.
೨೧ ಇವನು ಮೈತುಂಬಾ ಹುಣ್ಣಿದ್ದವನು. ಐಶ್ವರ್ಯವಂತನ ಮೇಜಿನಿಂದ ಬಿದ್ದ ಎಂಜಲನ್ನು ತಿಂದು
ಹಸಿವೆ ತೀರಿಸಿಕೊಳ್ಳಬೇಕೆಂದಿದ್ದನು. ಇಷ್ಟು ಮಾತ್ರವಲ್ಲದೆ ನಾಯಿಗಳು ಸಹ ಬಂದು ಅವನ
ಹುಣ್ಣುಗಳನ್ನು ನೆಕ್ಕುವವು. ೨೨ ಹೀಗಿರುವಲ್ಲಿ ಸ್ವಲ್ಪ ಕಾಲದ ಮೇಲೆ ಆ ಭಿಕ್ಷಗಾರನು ಸತ್ತನು.
ದೇವದೂತರು ಅವನನ್ನು ತೆಗೆದುಕೊಂಡು ಹೋಗಿ ಅಬ್ರಹಾಮನ ಎದೆಗೆ ಒರಗಿಸಿದರು. ಆ
ಐಶರ್ಯವಂತನು ಸಹ ಸತ್ತನು. ಅವನಿಗೆ ಉತ್ತರ ಕ್ರಿಯೆಗಳು ಆದವು. ೨೩ ಅವನು ಪಾತಾಳದೊಳಗೆ
ಯಾತನೆಪಡುತ್ತಾ ಇರುವಲ್ಲಿ ಕಣ್ಣೆತ್ತಿ ದೂರದಿಂದ ಅಬ್ರಹಾಮನನ್ನು ಇವನ ಎದೆಗೆ ಒರಗಿಕೊಂಡಿದ್ದ
ಲಾಜರನನ್ನೂ ನೋಡಿ – ೨೪ ತಂದೆಯೇ ಅಬ್ರಹಾಮನೇ ನನ್ನ ಮೇಲೆ ದಯವಿಟ್ಟು ಲಾಜರನನ್ನು
ಕಳುಹಿಸು ಅವನು ತನ್ನ ತುದಿ ಬೆರಳನ್ನು ನೀರಿನಲ್ಲಿ ಅದ್ದಿ ನನ್ನ ನಾಲಿಗೆಯನ್ನು ತಣ್ಣಗೆ ಮಾಡಲಿ
ಈ ಉರಿಯಲ್ಲಿ ಸಂಕಟ ಪಡುತ್ತೇನೆ. ಎಂದು ಕೂಗಿ ಹೇಳಿದನು. ೨೫ ಆದರೆ ಅಬ್ರಾಹಾಮನು
— ಕಂದಾ ನೀನು ಆಶಿಸಿದ ಸುಖವನ್ನು ನಿನ್ನ ಜೀವಮಾನದಲ್ಲಿ ಹೊಂದಿದಿ.ಹಾಗೆಯೇ
ಲಾಜರನು ಕಷ್ಟವನ್ನು ಹೊಂದಿದನು ಎಂಬದನ್ನು ನೆನಪಿಗೆ ತಂದುಕೋ. ಈಗಲಾದರೋ ಇಲ್ಲಿ
ಇವನಿಗೆ ಸಮಾಧಾನ, ಆದರೆ ನಿನಗೆ ಸಂಕಟ. ೨೬ ಇದು ಮಾತ್ರವಲ್ಲದೆ ನಮಗೂ ನಿಮಗೂ
ನಡುವೆ ದೊಡ್ಡದೊಂದು ಡೊಂಗರ ಸ್ಥಾಪಿಸಿಯದೆ . ಆದಕಾರಣ ಈ ಕಡೆಯಿಮದ ನಿಮ್ಮ
ಬಳಿಗೆ ಹೋಗಬೇಕೆಂದಿರುವವರು ಹೋಗಲಾರರು. ಮತ್ತು ಆ ಕಡೆಯಿಂದ ನಮ್ಮ ಬಳಿಗೆ
ಯಾರೂ ದಾಟುವದಕ್ಕಾಗದು ಅಂದನು. ೨೭ ಆಗ ಅವನು — ಅಪ್ಪಾ ಹಾಗಾದರೆ ಲಾಜರನನ್ನು ನನ್ನ
ತಂದೆಯ ಮನೆಗೆ ಕಳುಹಿಸಬೇಕೆಂದು ನಿನ್ನನ್ನು ಬೇಡಿಕೊಳ್ಳುತ್ತೇನೆ. ೨೮ ನನಗೆ ಐದು ಮಂದಿ
ಅಣ್ಣತಮ್ಮಂದಿರಿದ್ದಾರೆ. ಅವರು ಸಹ ಈ ಯಾತನೆಯ ಸ್ಥಳಕ್ಕೆ ಬಂದಾರು. ಬಾರದಂತೆ ಅವನು ತಾನು
ಕಂಡದ್ದನ್ನು ಅವರಿಗೆ ಚೆನ್ನಾಗಿ ಹೇಳಲಿ ಅಂದನು. ೨೯ ಆದರೆ ಅಬ್ರಹಾಮನು – ಮೋಶೆಯ
ಧರ್ಮಶಾಸ್ತ್ರವೂ ಪ್ರವಾದಿಗಳ ಗ್ರಂಥಗಳೂಅವರಲ್ಲಿ ಅವೆ. ಅವುಗಳನ್ನು ಕೇಳಲಿ. ಅನ್ನಲು-
೩೦ ಅವನು ತಂದೆಯೇ ಅಬ್ರಹಾಮನೇ ಹಾಗಲ್ಲ. ಸತ್ತವರ ಕಡೆಯಿಂದ ಒಬ್ಬನು ಅವರ ಬಳಿಗೆ
ಹೋದರೆ ಅವರು ದೇವರ ಕಡೆಗೆ ತಿರುಗಿಕೊಳ್ಳುವರು ಅಂದನು. ೩೧ ಅಬ್ರಹಾಮನು ಅವನಿಗೆ –

ಅವರು ಮೋಶೆಯ ಮಾತನ್ನೂ ಪ್ರವಾದಿಗಳ ಮಾತನ್ನೂ ಕೇಳದಿದ್ದರೆ ಸತ್ತುಹೋಗಿದ್ದವನೊಬ್ಬನು
ಜೀವಿತನಾಗಿ ಎದ್ದರೂ ಅವರು ಒಪ್ಪುವದಿಲ್ಲ. ಎಂದು ಹೇಳಿದನು.

### ಮತ್ತೊಬ್ಬರಿಗೆ ವಿಘ್ನವಾಗದೆ ಅವರ ತಪ್ಪುಗಳನ್ನು ಕ್ಷಮಿಸಬೇಕೆಂಬುವ ಬೋಧೆ.

(ಮತ್ತಾ. ೧೮.೬,೭,೧೫,೨೧,೨೨)

# ೧೭

೧ ಆತನು ತನ್ನ ಶಿಷ್ಯರಿಗೆ—ತೊಡಕುಗಳು ಬಾರದೆ ಇರಲಾರವು; ಆದರೂ ಅವು
ಯಾಔನಿಂದ ಬರುತ್ತವೆಯೋ ಅವನ ಗತಿಯನ್ನು ಏನು ಹೇಳಲಿ?
೨ ಅವನು ಈ
ಚಿಕ್ಕವರಲ್ಲಿ ಒಬ್ಬನಿಗೆ ತೊಡಕನ್ನೊಡ್ಡುವದಕ್ಕಿಂತ ತನ್ನ ಕುತ್ತಿಗೆಗೆ ಬೀಸುವ ಕಲ್ಲನ್ನು ಕಟ್ಟಿಸಿಕೊಂಡು
ಸಮುದ್ರದಲ್ಲಿ ಹಾಕಿಸಿಕೊಳ್ಳುವದೇ ಲೇಸು.
೩ ನಿಮ್ಮ ವಿಷಯದಲ್ಲಿ ಎಚ್ಚರಿಕೆಯಾಗಿರಿ. ನಿನ್ನ
ಸಹೋದರನು ತಪ್ಪುಮಾಡಿದರೆ ಅವನನ್ನು ಗದರಿಸು; ಅವನು ಪಶ್ಚಾತ್ತಾಪಪಟ್ಟರೆ ಅವನ ತಪ್ಪನ್ನು
ಕ್ಷಮಿಸಿಬಿಡು.
೪ ಅವನು ದಿನಕ್ಕೆ ಏಳು ಸಾರಿ ನಿನಗೆ ತಪ್ಪುಮಾಡಿ ಏಳು ಸಾರಿಯೂ ನಿನ್ನ ಕಡೆಗೆ
ತಿರುಗಿಕೊಂಡು—ನನಗೆ ಪಶ್ಚಾತ್ತಾಪವಾಯಿತು ಎಂದು ಹೇಳಿದರೆ ಅವನಿಗೆ ಕ್ಷಮಿಸು ಎಂದು
ಹೇಳಿದನು.

### ನಂಬಿಕೆಯ ಮಹತ್ವದ ವರ್ಣನೆ.

(ಮತ್ತಾ. ೧೭.೨೦; ೨೧,೨೨.)

೫ ಅಪೊಸ್ತಲರು ಸ್ವಾಮಿಗೆ—ನಮ್ಮ ನಂಬಿಕೆಯನ್ನು ಹೆಚ್ಚಿಸು ಎಂದು ಹೇಳಲು
೬ ಸ್ವಾಮಿಯು—
ಸಾಸಿವೇ ಕಾಳಷ್ಟು ನಂಬಿಕೆ ನಿಮಗಿದ್ದರೆ ನೀವು ಈ ಅತ್ತೀಮರಕ್ಕೆ—ನೀನು ಬೇರುಸಹಿತ
ಕಿತ್ತುಕೊಂಡುಹೋಗಿ ಸಮುದ್ರದಲ್ಲಿ ನಾಟಿಕೋ ಎಂದು ಹೇಳಿದರೂ ಅದು ನಿಮ್ಮ ಮಾತನ್ನು
ಕೇಲುವದು. /ಮಾಡಬೇಕಾದದ್ದನ್ನು ಮಾಡುವದು ನಮ್ಮ ಕರ್ತವ್ಯವೇ ಹೊರತು ಪುಣ್ಯವಲ್ಲವೆಂಬ
ಬೋಧೆ.
೭ ನಿಮ್ಮಲ್ಲಿ ಯಾವನಿಗಾದರೂ ಉಳುವ ಅಥವಾ ಕುರಿಮೇಯಿಸುವ ಆಳಿರಲಾಗಿ ಅವನು
ಹೊಲದಿಂದ ಮನೆಗೆ ಬಂದ ಆ ಆಳಿಗೆ—ನೀನು ತಟ್ಟನೆ ಬಂದು ಊಟಕ್ಕೆ ಕೂತುಕೊ
ಎಂದು ಹೇಳಾನೇ?
೮ ಹಾಗೆ ಹೇಳಗೆ—ನೀನು ನನ್ನ ಊಟಕ್ಕೇನಾದರೂ ಸಿದ್ಧಮಾಡು, ನಾನು
ಊಟಮಾಡಿ ಕುಡಿಯುವ ತನಕ ನಡುಕಟ್ಟಿಕೊಂಡು ನನಗೆ ಸೇವೆಮಾಡು; ಆ ಮೇಲೆ
ನೀನು ಊಟಮಾಡಿ ಕುಡಿ ಎಂದು ಹೇಳುವನಲ್ಲವೇ.
೯ ತನ್ನ ಅಪ್ಪಣೆಯಂತೆ ನಡೆದ ಆ
ಆಳಿಗೆ—ನಿನ್ನಿಂದ ಉಪಕಾರವಾಯಿತೆಂದು ಅವನಿಗೆ ಹೇಳುವನೇ? ಇದರಂತೆಯೇ ನಿಮ್ಮ
ಸಂಗತಿ.
೧೦ ನೀವು ನಿಮಗೆ ಅಪ್ಪಣೆಯಾಗಿರುವದನ್ನೆಲ್ಲಾ ಮಾಡಿದ ಮೇಲೆ—ನಾವು ಆಳುಗಳು,
ಪ್ರಯೋಜನವಿಲ್ಲದವರು, ಮಾಡಬೇಕಾದದ್ದನ್ನೇ ಮಾಡಿದ್ದೇವೆ ಅನ್ನಿರಿ ಎಂದು ಹೇಳಿದನು.

### ಯೇಸು ಹತ್ತುಮಂದಿ ಕುಷ್ಠರೋಗಿಗಳನ್ನು ಸ್ವಸ್ಥಮಾಡಿದಾಗ ಒಬ್ಬನು ಮಾತ್ರ ಉಪಕಾರಸ್ತುತಿಮಾಡಿದ್ದು.

೧೧ ಆತನು ಯೆರೂಸಲೇಮಿಗೆ ಪ್ರಯಾಣಮಾಡುವಾಗ ಸಮಾರ್ಯ ಗಲಿಲಾಯ ಸೀಮೆಗಳ
ನಡುವೆ ಹಾದುಹೋದನು.
೧೨ ಒಂದು ಹಳ್ಳಿಗೆ ಬಂದಾಗ ಹತ್ತುಮಂದಿ ಕುಷ್ಠರೋಗಿಗಳು ಆತನ
ಎದುರಿಗೆ ಬಂದು ದೂರದಲ್ಲಿ ನಿಂತು—ಯೇಸುವೇ,
೧೩ ರುಗುವೇ, ನಮ್ಮ ಮೇಲೆ ದಯವಿಡು
ಎಂದು ಕೂಗಿಹೇಳಿದರು.
೧೪ ಆತನು ಅವರನ್ನು ನೋಡಿ—ನೀವು ಹೋಗಿ ಯಾಜಕರಿಗೆ ಮೈ
ತೋರಿಸಿಕೊಳ್ಳಿರಿ ಎಂದು ಹೇಳಿದನು. ಅವರು ಹೋಗುತ್ತಿರುವಾಗಲೇ ಶುದ್ಧರಾದರು.
೧೫ ಅವರಲ್ಲಿ
ಒಬ್ಬನು ತನಗೆ ಗುಣವಾದದ್ದನ್ನು ನೋಡಿ ಮಹಾಶಬ್ದದಿಂದ ದೇವರನ್ನು ಕೊಂಡಾಡುತ್ತಾ ಹಿಂತಿರುಗಿ
ಬಂದು ಯೇಸುವಿನ ಪಾದಗಳಿಗೆ ಅಡ್ಡಬಿದ್ದು
೧೬ ಆತನಿಗೆ ಉಪಕಾರಸ್ತುತಿಮಾಡಿದನು. ಅವನು
ಸಮಾರ್ಯದವನು.
೧೭ ಯೇಸು ಇದನ್ನು ನೋಡಿ—ಹತ್ತು ಮಂದಿ ಶುದ್ಧರಾದರಲ್ಲವೇ. ಮಿಕ್ಕ
ಒಂಭತ್ತು ಮಂದಿ ಎಲ್ಲಿ?
೧೮ ದೇವರನ್ನು ಸ್ತುತಿಸುವದಕ್ಕೆ ಈ ಅನ್ಯದೇಶದವನೇ ಹೊರತು ಇನ್ನಾರೂ
ಹಿಂತಿರುಗಿ ಬರಲಿಲ್ಲವೇ ಎಂದು ಹೇಳಿ ಅವನಿಗೆ—ಎದ್ದು ಹೋಗು,
೧೯ ನಿನ್ನ ನಂಬಿಕೆಯು
ನಿನ್ನನ್ನು ಸ್ವಸ್ಥಮಾಡಿಯದೆ ಎಂದು ಹೇಳಿದನು.

### ದೇವರ ರಾಜ್ಯವು ಯಾವಾಗ ಮತ್ತು ಎಲ್ಲಿ ಬರುವದು ಎಂಬ ವಿಷಯವಾಗಿ ಯೇಸು ಉಪದೇಶಮಾಡಿದ್ದು.

೨೦ ದೇವರ ರಾಜ್ಯವು ಯಾವಾಗ ಬರುವದೆಂದು ಫರಿಸಾಯರು ಆತನನ್ನು ಕೇಳಿದಾಗ ಆತನು
ಅವರಿಗೆ—ದೇವರ ರಾಜ್ಯವು ಪ್ರತ್ಯಕ್ಷವಾಗಿ ಬರುವಂಥದಲ್ಲ. ೨೧ ಇಗೋ ಇಲ್ಲಿ ಇದೆ, ಅಗೋ ಅಲ್ಲಿ
ಅದೆ ಎಂದು ಹೇಳುವದಕ್ಕಾಗದು; ದೇವರ ರಾಜ್ಯವು ನಿಮ್ಮಲ್ಲಿಯೇ ಅದೆ ಅಂತ ತಿಳುಕೊಳ್ಳಿರಿ
ಎಂದು ಉತ್ತರಕೊಟ್ಟನು.
೨೨ ಮತ್ತು ಆತನು ತನ್ನ ಶಿಷ್ಯರಿಗೆ ಹೇಳಿದ್ದೇನಂದರೆ—ಒಂದು ಕಾಲ ಬರುತ್ತದೆ, ಅದರಲ್ಲಿ
ನೀವು ಮನುಷ್ಯಕುಮಾರನ ದಿವಸಗಳೊಳಗೆ ಒಂದು ದಿನವನ್ನು ನೋಡಬೇಕೆಂದು
ಅಪೇಕ್ಷಿಸಿದರೂ ಅದನ್ನು ನೋಡದೆ ಇರುವಿರಿ. ೨೩ ಜನರು ನಿಮಗೆ—ಅಗೋ ಅಲ್ಲಿದ್ದಾನೆ,
ಇಗೋ ಇಲ್ಲಿದ್ದಾನೆ ಎಂದು ಹೇಳಿದರೆ ನೀವು ಹೊರಟುಹೋಗಬೇಡಿರಿ, ಅವರನ್ನು
ಹಿಂಬಾಲಿಸಲೂ ಬೇಡಿರಿ. ೨೪ ಯಾಕಂದರೆ ಮಿಂಚು ಮಿಂಚುತ್ತಾ ಆಕಾಶದಲ್ಲಿ ಒಂದು ಕಡೆಯಿಂದ
ಮತ್ತೊಂದು ಕಡೆಯವರೆಗೂ ಹೇಗೆ ಹೊಳೆಯುವದೋ ಹಾಗೆಯೇ ಮನುಷ್ಯಕುಮಾರನು
ತನ್ನ ದಿನದಲ್ಲಿರುವನು. ೨೫ ಆದರೆ ಮೊದಲು ಆತನು ಬಹು ಕಷ್ಟಗಳನ್ನನುಭವಿಸಿ ಈಗಿನ
ಕಾಲದ ಜನರಿಂದ ನಿರಾಕರಿಸಲ್ಪಡಬೇಕು. ೨೬ ನೋಹನ ದಿವಸಗಳಲ್ಲಿ ನಡೆದ ಹಾಗೆಯೇ
ಮನುಷ್ಯಕುಮಾರನ ದಿವಸಗಳಲ್ಲಿಯೂ ನಡೆಯುವದು. ೨೭ ನೋಹನು ನಾವೆಯಲ್ಲಿ ಸೇರಿದ
ದಿನದ ತನಕ ಜನರು ಊಟಮಾಡುತ್ತಿದ್ದರು, ಕುರಿಯುತ್ತಿದ್ದರು, ಮದುವೆಮಾಡಿಕೊಳ್ಳುತ್ತಿದ್ದರು,
ಮದುವೆಮಾಡಿಕೊಡುತ್ತಿದ್ದರು. ಆಗ ಜಲಪ್ರಲಯವು ಬಂದು ಎಲ್ಲರನ್ನು ನಾಶಮಾಡಿತು. ೨೮ ಮತ್ತು
ಲೋಟನ ದಿವಸಗಳಲ್ಲಿ ನಡೆದ ಪ್ರಕಾರ ನಡೆಯುವದು. ಅವರು ಊಟಮಾಡುತ್ತಿದ್ದರು,
ಕುಡಿಯುತ್ತಿದ್ದರು, ಕೊಳ್ಳುತ್ತಿದ್ದರು. ೨೯ ಆದರೆ ಲೋಟನು ಸೊದೊಮ್ ಊರನ್ನು ಬಿಟ್ಟುಹೋದ
ದಿವಸದಲ್ಲಿ ಆಕಾಶದಿಂದ ಬೆಂಕಿಗಂಧಕಗಳು ಸುರಿದು ಅವರೆಲ್ಲರನ್ನು ನಾಶಮಾಡಿದವು.
೩೦ ಮನುಷ್ಯಕುಮಾರನು ಪ್ರತ್ಯಕ್ಷವಾಗುವ ದಿವಸದಲ್ಲಿ ಅದೇ ರೀತಿಯಾಗಿ ಇರುವದು.
೩೧ ಆ ದಿನದಲ್ಲಿ ಮಾಳಿಗೆಯಮೇಲೆ ಇರುವವನು ಮನೆಯೊಳಗಿರುವ ತನ್ನ ವಸ್ತುಗಳನ್ನು
ತೆಗೆದುಕೊಳ್ಳುವದಕ್ಕೆ ಇಳಿದು ಬರಬಾರದು; ಅದೇ ಪ್ರಕಾರ ಹೊಲದಲ್ಲಿರುವವನು ಸಹ ತಿರಿಗಿ
ಹಿಂದಕ್ಕೆ ಹೋಗಬಾರದು. ೩೨ ಲೋಟನ ಹೆಂಡತಿಯನ್ನು ನೆನಪಿಗೆ ತಂದುಕೊಳ್ಳಿರಿ. ೩೩ ತನ್ನ
ಪ್ರಾಣವನ್ನು ದೊರಕಿಸಿ ಕೊಳ್ಳಬೇಕೆಂದಿರುವವನು ಅದನ್ನು ಕಳಕೊಳ್ಳುವನು; ಪ್ರಾಣವನ್ನು
ಕಳಕೊಂಡವನು ಅದನ್ನು ರಕ್ಷಿಸಿಕೊಳ್ಳುವನು. ೩೪ ಆ ರಾತ್ರಿಯಲ್ಲಿ ಒಂದೇ ಮಂಚದ ಮೇಲೆ
ಇಬ್ಬರಿರುವರು; ಒಬ್ಬನು ತೆಗೆದುಕೊಳ್ಳಲ್ಪಡುವನು, ಮತ್ತೊಬ್ಬನು ಬಿಡಲ್ಪಡುವನು. ೩೫ ಇಬ್ಬರು
ಹೆಂಗಸರು ಒಂದೇ ಕಲ್ಲಲ್ಲಿ ಬೀಸುತ್ತಿರುವರು; ಒಬ್ಬಳು ತೆಗೆದುಕೊಳ್ಳಲ್ಪಡುವಳು, ಮತ್ತೊಬ್ಬಳು
ಬಿಡಲ್ಪಡುವಳು ಅಂದನು. ೩೬ ೩೭ಈ ಮಾತಿಗೆ ಶಿಷ್ಯರು—ಸ್ವಾಮೀ, ಅದು ಎಲ್ಲಿ ಆಗುವದು ಎಂದು
ಕೇಳಲು ಆತನು ಅವರಿಗೆ—ಹೆಣ ಎಲ್ಲಿಯೋ ಅಲ್ಲಿಯೇ ಹದ್ದುಗಳು ಕೂಡುವವು ಎಂದು
ಉತ್ತರಕೊಟ್ಟನು.

### ಯೇಸು ಪ್ರಾರ್ಥನೆಯ ವಿಷಯದಲ್ಲಿ ಅನ್ಯಾಯಗಾರನಾದ ನ್ಯಾಯಾಧಿಪತಿಯ ಸಾಮ್ಯದ ಮೂಲಕ ಉಪದೇಶಮಾಡಿದ್ದು

೧೮ ೧ ಬೇಸರಗೊಳ್ಳದೆ ಯಾವಾಗಲೂ ಪ್ರಾರ್ಥನೆ ಮಾಡುತ್ತಿರಬೇಕೆಂಬದಕ್ಕೆ ಆತನು
ಅವರಿಗೆ ಒಂದು ಸಾಮ್ಯನ್ನು ಹೇಳಿದನು. ೨ ಅದೇನಂದರೆ—ಒಂದಾನೊಂದು ಊರಿನಲ್ಲಿ
ಒಬ್ಬ ನ್ಯಾಯಾಧಿಪತಿ ಇದ್ದನು; ಅವನು ದೇವರಿಗೆ ಹೆದರದೆ ಮನುಷ್ಯರನ್ನು ಲಕ್ಷ್ಯಮಾಡದೆ
ಇದ್ದವನು. ೩ ಅದೇ ಊರಿನಲ್ಲಿ ಒಬ್ಬ ವಿಧವೆ ಇದ್ದಳು. ಆಕೆಯು ಅವನ ಬಳಿಗೆ ಬಂದು —
ನ್ಯಾಯವಿಚಾರಣೆಮಾಡಿ ನನ್ನ ವಿರೋಧಿಯಿಂದ ನನ್ನನ್ನು ಬಿಡಿಸು ಎಂದು ಹೇಳಿಕೊಳ್ಳುತ್ತಿದ್ದಳು.
೪ ಅವನು ಸ್ವಲ್ಪಕಾಲ ಮನಸ್ಸುಕೊಡಲಿಲ್ಲ. ಆ ಮೇಲೆ ಅವನು—ನಾನು ದೇವರಿಗೆ ಹೆದರುವವನಲ್ಲ,,
ಮನುಷ್ಯರನ್ನು ಲಕ್ಷ್ಯ ಮಾಡುವವನಲ್ಲ; ೫ ಆದರೂ ಈ ವಿಧವೆ ನನ್ನನ್ನು ಕಾಡುತ್ತಾ ಬರುವದರಿಂದ
ಈಕೆಯ ನ್ಯಾಯವನ್ನು ವಿಚಾರಿಸಿ ತೀರ್ಪುಮಾಡುವೆನು; ಇಲ್ಲವಾದರೆ ಈಕೆಯು ಬಂದು
ಬಂದು ಕಡೆಗೆ ನನ್ನನ್ನು ದಣಿಸಾಳು ಎಂದು ತನ್ನೊಳಗೆ ಅಂದುಕೊಂಡನು. ೬ ಸ್ವಾಮಿಯು ಈ
ಸಾಮ್ಯವನ್ನು ಹೇಳಿದ ಮೇಲೆ—ಅನ್ಯಾಯಗಾರನಾದ ಈ ನ್ಯಾಯಾಧಿಪತಿ ಅಂದುಕೊಂಡದ್ದನ್ನು
ಆಲೋಚಿಸಿಕೊಳ್ಳಿರಿ. ೭ ದೇವರಾದುಕೊಂಡವರು ಆತನಿಗೆ ಹಗಲು ರಾತ್ರಿ ಮೊರೆಯಿಡುವಲ್ಲಿ

ಆತನು ಅವರ ವಿಷಯದಲ್ಲಿ ತಡಮಾಡಿದರೂ ಅವರ ನ್ಯಾಯವನ್ನು ತೀರಿಸದೆ ಇರುವನೇ?
ಅವರಿಗೆ ಬೇಗ ನ್ಯಾಯವನ್ನು ತೀರಿಸದೆ ಇರುವನೇ? ಅವರಿಗೆ ಬೇಗ ನ್ಯಾಯತೀರಿಸುವನೆಂದು
ನಿಮಗೆ ಹೇಳುತ್ತೇನೆ. ೮ ಹೀಗಿದ್ದರೂ ಮನುಷ್ಯಕುಮಾರನು ಬಂದಾಗ ಭೂಮಿಯ ಮೇಲೆ
ನಂಬಿಕೆಯನ್ನು ಕಾಣುವನೋ? ಅಂದನು.

ಪ್ರಾರ್ಥನೆಮಾಡುವದಕ್ಕಾಗಿ ದೇವಾಲಯಕ್ಕೆ ಹೋದ ಫರಿಸಾಯನನ್ನೂ ಸುಂಕದವನನ್ನೂ ಕುರಿತದ್ದು.

೯ ಇದಲ್ಲದೆ ತಾವೇ ನೀತಿವಂತರೆಂದು ತಮ್ಮಲ್ಲಿ ಭರವಸವಿಟ್ಟುಕೊಂಡು ಉಳಿದವರನ್ನು
ಉದಾಸೀನಮಾಡುವಂಥ ಕೆಲವರಿಗೆ ಒಂದು ಸಮ್ಯವನ್ನು ಹೇಳಿದನು. ೧೦ ಅದೇನಂದರೆ—
ಪ್ರಾರ್ಥನೆಮಾಡಬೇಕೆಂದು ಇಬ್ಬರು ಮನುಷ್ಯರು ದೇವಾಲಯಕ್ಕೆ ಹೋದರು; ಒಬ್ಬನು
ಫರಿಸಾಯನು, ಒಬ್ಬನು ಸುಂಕದವನು. ೧೧ ಫರಿಸಾಯನು ನಿಂತುಕೊಂಡು ಪ್ರಾರ್ಥಿಸುವಾಗ
ತನ್ನೊಳಗೆ—ದೇವರೇ, ಸುಲುಕೊಳ್ಳುವವರೂ ಅನ್ಯಾಯಗಾರರೂ ಹಾದರಮಾಡುವವರೂ
ಆಗಿರುವ ಉಳಿದ ಜನರಂತೆ ನಾನಲ್ಲ, ಈ ಸುಂಕದವನಂತೆಯೂ ಅಲ್ಲ; ಆದದರಿಂದ ನಿನಗೆ
ಸ್ತೋತ್ರಮಾಡುತ್ತೇನೆ. ೧೨ ವಾರಕ್ಕೆ ಎರಡಾವರ್ತಿ ಉಪವಾಸಮಾಡುತ್ತೇನೆ; ನಾನು ಸಂಪಾದಿಸುವ
ಎಲ್ಲಾದರಲ್ಲಿಯೂ ಹತ್ತರಲ್ಲೊಂದು ಪಾಲು ಕೊಡುತ್ತೇನೆ ಅಂದುಕೊಂಡನು. ೧೩ ಆದರೆ ಆ
ಸುಂಕದವನು ದೂರದಲ್ಲಿ ನಿಂತು ಆಕಾಶದ ಕಡೆಗೆ ಕಣ್ಣೆತ್ತಿ ನೋಡುವದಕ್ಕೂ ಮನಸ್ಸಿಲ್ಲದೆ
ಎದೆಯನ್ನು ಬಡುಕೊಳ್ಳುತ್ತಾ—ದೇವರೇ, ಪಾಪಿಯಾದ ನನ್ನನ್ನು ಕರುಣಿಸು ಅಂದನು. ೧೪ ಇವನು
ನೀತಿವಂತನೆಂದು ನಿರ್ಣಯಿಸಲ್ಪಟ್ಟವನಾಗಿ ತನ್ನ ಮನೆಗೆ ಹೋದನು, ಆ ಫರಿಸಾಯನು
ಅಂಥವನಾಗಿ ಹೋಗಲಿಲ್ಲ ಎಂದು ನಿಮಗೆ ಹೇಳುತ್ತೇನೆ. ತನ್ನನ್ನು ಹೆಚ್ಚಿಸಿಕೊಳ್ಳುವ
ಪ್ರತಿಯೊಬ್ಬನು ತಗ್ಗಿಸಲ್ಪಡುವನು; ತನ್ನನ್ನು ತಗ್ಗಿಸಿಕೊಳ್ಳುವವರು ಹೆಚ್ಚಿಸಲ್ಪಡುವನು ಅಂದನು.

ಯೇಸು ಚಿಕ್ಕ ಮಕ್ಕಳನ್ನು ಆಶೀರ್ವದಿಸಿದ್ದು.

(ಮತ್ತಾ. ೧೯.೧೩-೧೫; ಮಾರ್ಕ ೧೦.೧೩-೧೬)

೧೫ ಕೆಲವರು ತಮ್ಮ ಕೂಸುಗಳನ್ನು ಸಹ ಯೇಸುವಿನಿಂದ ಮುಟ್ಟಿಸಬೇಕೆಂದು ಆತನ ಬಳಿಗೆ
ತರಲು ಶಿಷ್ಯರು ಕಂಡು ಅವರನ್ನು ಗದರಿಸಿದರು. ೧೬ ಆದರೆ ಯೇಸು ಆ ಕೂಸುಗಳನ್ನು ತನ್ನ ಬಳಿಗೆ
ಕರತರಿಸಿ—ಮಕ್ಕಳನ್ನು ನನ್ನ ಹತ್ತಿರಕ್ಕೆ ಬರಗೊಡಿಸಿರಿ; ಅವುಗಳಿಗೆ ಅಡ್ಡಿಮಾಡಬೇಡಿರಿ;
ದೇವರ ರಾಜ್ಯವು ಇಂಥವರದೇ. ೧೭ ನಿಮಗೆ ಸತ್ಯವಾಗಿ ಹೇಳುತ್ತೇನೆ, ಯಾವನು ಶಿಶುಭಾವದಿಂದ
ದೇವರ ರಾಜ್ಯವನ್ನು ಅಂಗೀಕರಿಸುವದಿಲ್ಲವೋ ಅವನು ಅದರಲ್ಲಿ ಸೇರುವದೇ ಇಲ್ಲ ಅಂದನು.

ನಿತ್ಯಜೀವವನ್ನು ಹೇಗೆ ಪಡೆಯಬೇಕೆಂದು ಒಬ್ಬ ಐಶ್ವರ್ಯವಂತನು
ಕೇಳಿದ್ದಕ್ಕೆ ಯೇಸು ಹಣದ ಭ್ರಾಂತಿಯಿಂದಾಗುವ ಕೇಡನ್ನು ತೋರಿಸಿದ್ದು.

(ಮತ್ತಾ. ೧೯.೧೬-೨೯; ಮಾರ್ಕ ೧೦.೧೭-೩೦)

೧೮ ಒಬ್ಬ ಅಧಿಕಾರಿಯು ಒಂದು—ಒಳ್ಳೇ ಬೋಧಕನೇ, ನಾನು ನಿತ್ಯಜೀವಕ್ಕೆ ಬಾಧ್ಯನಾಗುವಂತೆ
ಏನು ಮಾಡಬೇಕು ಎಂದು ಆತನನ್ನು ಕೇಳಲಾಗಿ ೧೯ ಯೇಸು ಅವನಿಗೆ—ನನ್ನನ್ನು ಒಳ್ಳೆಯವನೆಂದು
ಯಾಕೆ ಹೇಳುತ್ತೀ? ದೇವರೊಬ್ಬನೇ ಹೊರತು ಮತ್ತಾವನೂ ಒಳ್ಳೆಯವನಲ್ಲ. ೨೦ ವ್ಯಭಿಚಾರ
ಮಾಡಬಾರದು; ನರಹತ್ಯ ಮಾಡಬಾರದು; ಕದಿಯ ಬಾರದು; ಸುಳ್ಳುಸಾಕ್ಷಿ ಹೇಳಬಾರದು; ನಿನ್ನ
ತಂದೆತಾಯಿಗಳನ್ನು ಸನ್ಮಾನಿಸಬೇಕು ಎಂಬ ದೇವರಾಜ್ಞೆಗಳು ನಿನಗೆ ಗೊತ್ತಿವೆಯಷ್ಟೆ, ಎಂದು
ಹೇಳಿದನು. ೨೧ ಅದಕ್ಕವನು—ನಾನು ಚಿಕ್ಕಂದಿನಿಂದಲೂ ಇವೆಲ್ಲಕ್ಕೂ ಸರಿಯಾಗಿ ನಡಕೊಂಡು
ಬಂದಿದ್ದೇನೆ ಎಂದು ಹೇಳಲು ೨೨ ಯೇಸು ಅದನ್ನು ಕೇಳಿ ಅವನಿಗೆ—ಇನ್ನೂ ನಿನಗೆ ಒಂದು
ಕಡಿಮೆಯಾಗಿದೆ; ನಿನ್ನ ಬದುಕನ್ನೆಲ್ಲಾ ಮಾರಿ ಬಡವರಿಗೆ ಹಂಚಿಕೊಡು; ಪರಲೋಕದಲ್ಲಿ ನಿನಗೆ
ಸಂಪತ್ತಿರುವದು; ನೀನು ಬಂದು ನನ್ನನ್ನು ಹಿಂಬಾಲಿಸು ಎಂದು ಹೇಳಿದನು. ೨೩ ಅವನು ಬಹಳ
ಐಶ್ವರ್ಯವಂತನಾಗಿದ್ದದರಿಂದ ಇದನ್ನು ಕೇಳಿ ಬಹಳ ವ್ಯಸನಗೊಂಡನು. ೨೪ ಆಗ ಯೇಸು ಅವನನ್ನು
ನೋಡಿ—ಧನವಂತರು ದೇವರ ರಾಜ್ಯದಲ್ಲಿ ಸೇರುವದು ಎಷ್ಟೋ ಕಷ್ಟ. ೨೫ ಐಶ್ವರ್ಯವಂತನು
ದೇವರ ರಾಜ್ಯದಲ್ಲಿ ಸೇರುವದಕ್ಕಿಂತ ಒಂಟೆಯು ಸೂಜೀಕಣ್ಣಿನಲ್ಲಿ ನುಗ್ಗುವದು ಸುಲಭ ಅಂದನು.
೨೬ ಈ ಮಾತನ್ನು ಕೇಳಿದವರು—(ಹೀಗಿದ್ದರೆ) ಯಾರಿಗೆ ರಕ್ಷಣೆಯಾದೀತು ಎಂದು ಕೇಳಲು
೨೭ ಆತನು—ಮನುಷ್ಯರಿಗೆ ಅಸಾಧ್ಯವಾದ ಕಾರ್ಯಗಳು ದೇವರಿಗೆ ಸಾಧ್ಯವಾಗಿವೆ ಅಂದನು.
೨೮ ಆಗ ಪೇತ್ರನು—ಇಗೋ, ನಾವು ನಮ್ಮ ನಮ್ಮ ಮನೆ ಮಾರುಗಳನ್ನು ಬಿಟ್ಟುನಿನ್ನ ಹಿಂದೆ

ಬಂದೆವು ಎಂದು ಹೇಳಲು ೨೯ ಆತನು ಅವರಿಗೆ — ನಿಮಗೆ ಸತ್ಯವಾಗಿ ಹೇಳುತ್ತೇನೆ, ಯಾವನು
ದೇವರ ರಾಜ್ಯದ ನಿಮಿತ್ತ ಮನೆಯನ್ನಾಗಲಿ ಹೆಂಡತಿಯನ್ನಾಗಲಿ ಅಣ್ಣತಮ್ಮಂದಿರನ್ನಾಗಲಿ
ತಂದೆತಾಯಿಗಳನ್ನಾಗಲಿ ಮಕ್ಕಳನ್ನಾಗಲಿ ಬಿಟ್ಟುಬಿಟ್ಟಿರುವನೋ ೩೦ ಅವನಿಗೆ ಈಗಿನ ಕಾಲದಲ್ಲಿ
ಅನೇಕ ಪಾಲು ಹೆಚ್ಚಾದವುಗಳು ಸಿಕ್ಏ ಸಿಕ್ಕುತ್ತವೇ; ಮತ್ತು ಮುಂದಣ ಲೋಕದಲ್ಲಿ ನಿತ್ಯಜೀವವು
ದೊರೆಯುವದು ಎಂದು ಹೇಳಿದನು.

ಯೇಸು ತನ್ನ ಮರಣ ಪುನರುತ್ಥಾನಗಳನ್ನು ಮೂರನೆಯ ಸಾರಿ ಮುಂತಿಳಿಸಿದ್ದು.

(ಮತ್ತಾ. ೨೦.೧೭-೧೯; ಮಾರ್ಕ ೧೦.೩೨-೩೪)

೩೧ ಆತನು ತನ್ನ ಹನ್ನೆರಡು ಮಂದಿ ಶಿಷ್ಯರನ್ನು ಕರೆದುಕೊಂಡು ಅವರಿಗೆ—ನೋಡಿರಿ, ನಾವು
ಯೆರೂಸಲೇಮಿಗೆ ಹೋಗುತ್ತಾ ಇದ್ದೇವೆ; ಮತ್ತು ಮನುಷ್ಯಕುಮಾರನ ವಿಷಯದಲ್ಲಿ ಪ್ರವಾದಿಗಳು
ಬರೆದದ್ದೆಲ್ಲಾ ಅವನಲ್ಲಿ ನೆರವೇರುವದು. ೩೨ ಹೇಗಂದರೆ—ಅವನನ್ನು ಅನ್ಯರ ಕೈಗೆ ಒಪ್ಪಿಸುವರು,
ಇವರು ಅವನನ್ನು ಅಪಹಾಸ್ಯ ಮಾಡುವರು, ಬೈಯುವರು, ಉಗುಳುವರು, ಕೊರಡೆಗಳಿಂದ
ಹೊಡೆಯುವರು, ಕೊಂದುಹಾಕುವರು; ೩೩ ಮತ್ತು ಮೂರನೆಯ ದಿನದಲ್ಲಿ ಅವನು ಜೀವಿತನಾಗಿ
ಎದ್ದು ಬರುವನು ಎಂದು ಹೇಳಿದನು. ೩೪ ಅವರು ಈ ಸಂಗತಿಗಳಲ್ಲಿ ಒಂದನ್ನಾದರೂ ಗ್ರಹಿಸಲಿಲ್ಲ, ಈ
ಮಾತುಗಳು ಅವರಿಗೆ ಮರೆಯಾಗಿದ್ದವು, ಅವುಗಳ ಅರ್ಥ ಅವರಿಗೆ ಗೊತ್ತಾಗಲಿಲ್ಲ.

ಒಬ್ಬ ಕುರುಡನನ್ನು ಸ್ವಸ್ಥಮಾಡಿದ್ದು.

ಮತ್ತಾ. ೨೦.೨೯-೩೪; ಮಾರ್ಕ ೫೦.೪೬-೫೨)

೩೫ ಆತನು ಯೆರಿಕೋವಿನ ಸಮೀಪಕ್ಕೆ ಬಂದಾಗ ದಾರಿಯ ಮಗ್ಗುಲಲ್ಲಿ ಕೂತು
ಭಿಕ್ಷೆಬೇಡುತ್ತಿದದ ಒಬ್ಬ ಕುರುಡನು ೩೬ ಗುಂಪಾಗಿ ಹೋಗುತ್ತಿದ್ದ ಜನರ ಶಬ್ದವನ್ನು ಕೇಳಿ ಇದೇನು
ಎಂದು ವಿಚಾರಿಸಿದನು. ೩೭ ಅವರು ಅವನಿಗೆ—ನಜರೇತಿನ ಯೇಸು ಈ ಮಾರ್ಗವಾಗಿ
ಹೋಗುತ್ತಿದ್ದಾನೆಂದು ತಿಳಿಸಿದಾಗ ೩೮ ವನು—ಯೇಸುವೇ, ದಾವೀದನ ಕುಮರನೇ, ನನ್ನನ್ನು
ಕರುಣಿಸು ಎಂದು ಕೂಗಿ ಕೇಳಿಕೊಂಡನು. ೩೯ ಮುಂದೆ ಹೋಗುತ್ತಿದ್ದವರು ಸುಮ್ಮನಿರು
ಎಂದು ಅವನನ್ನು ಗದರಿಸಲು ಅವನು—ದಾವೀದನ ಕುಮಾರನೇ, ನನ್ನನ್ನು ಕರುಣಿಸು ಎಂದು
ಮತ್ತಷ್ಟು ಕೂಗಿಕೊಂಡನು. ೪೦ ಆಗ ಯೇಸು ನಿಂತು ಅವನನ್ನು ತನ್ನ ಬಳಿಗೆ ಕರತರುವದಕ್ಕೆ
ಅಪ್ಪಣೆಕೊಟ್ಟನು. ೪೧ ಅವನು ಹತ್ತಿರಕ್ಕೆ ಬಂದನು. ಆತನು ಅವನನ್ನು—ನಾನು ನೀಗೆ ಏನು
ಮಾಡಬೇಕೆಂದು ಕೋರುತ್ತೀ ಎಂದು ಕೇಳಲು ಅವನು—ನನಗೆ ಕಣ್ಣುಬರುವಂತೆ ಮಾಡಬೇಕು.
ಸ್ವಾಮೀ ಅಂದನು. ೪೨ ಯೇಸು ಅವನಿಗೆ—ನಿನಗೆ ಕಣ್ಣುಬರಲಿ; ನಿನ್ನ ನಂಬಿಕೆಯೇ ನಿನ್ನನ್ನು
ಸ್ವಸ್ಥಮಾಡಿ ಅದೆ ಎಂದು ಹೇಳಿದನು. ೪೩ ತಕ್ಷಣವೇ ಅವನಿಗೆ ಕಣ್ಣುಬಂದವೂ; ಅವನು ದೇವರನ್ನು
ಕೊಂಡಾಡುತ್ತಾ ಆತನ ಹಿಂದೆ ಹೋದನು. ಜನರೆಲ್ಲರು ನಡೆದ ಸಂಗತಿಯನ್ನು ನೋಡಿ ದೇವರನ್ನು
ಸ್ತುತಿಸಿದರು.

ಯೇಸು ಸುಂಕದವನಾದ ಜಕ್ಕಾಯನ ಮನೆಗೆ ಹೋದದ್ದು

೧೯ ೧ ಆತನು ಯೆರಿಕೋ ಊರನ್ನು ಹೊಕ್ಕು ದಾಟಿ ಹೋಗುತ್ತಿದ್ದನು. ೨ ಅಲ್ಲಿ
ಜಕ್ಕಾಯನೆಂಬ ಹೆಸರುಳ್ಳ ಒಬ್ಬ ಮನುಷ್ಯನಿದ್ದನು; ಅವನು ಸುಂಕದ ಗುತ್ತಿಗೆ ದಾರನು
ಮತ್ತು ಐಶ್ವರ್ಯವಂತನು. ೩ ಅವನು ಯೇಸು ಎಂಥವನೆಂದು ನೋಡಲಪೇಕ್ಷಿಸಿದರೂ ತಾನು
ಗಿಡ್ಡನಾಗಿದ್ದದರಿಂದ ಜನರ ಗುಂಪಿನ ನಿಮಿತ್ತ ನೋಡಲಾರದೆ ಹೋದನು. ೪ ಆದಕಾರಣ ಆತನನ್ನು
ನೋಡುವದಕ್ಕಾಗಿ ಮುಂದೆ ಓಡಿಹೋಗಿ ಆತನು ಬರುತ್ತಿರುವ ಮಾರ್ಗದಲ್ಲಿದ್ದ ಆಲದ ಮರವನ್ನು
ಹತ್ತಿದನು. ೫ ಯೇಸು ಅಲ್ಲಿಗೆ ಬಂದು ಮೇಲಕ್ಕೆ ನೋಡಿ—ಜಕ್ಕಾಯನೇ, ತಟ್ಟನೆ ಇಳಿದು ಬಾ,
ನಾನು ಈಹೊತ್ತು ನಿನ್ನ ಮನೆಯಲ್ಲಿ ಇಳುಕೊಳ್ಳಬೇಕು ಎಂದು ಅವನಿಗೆ ಹೇಳಲು ೬ ಅವನು ತಟ್ಟನೆ
ಇಳಿದು ಬಂದು ಆತನನ್ನು ಸಂತೋಷದಿಂದ ಸೇರಿಸಿಕೊಂಡನು ೭ ಇದನ್ನು ನೋಡಿದವರೆಲ್ಲರು—
ಈತನು ಪಾಪಿಯಾಗಿರುವವನ ಬಳಿಯಲ್ಲಿ ಇಳುಕೊಳ್ಳುವದಕ್ಕೆ ಹೋಗಿದ್ದಾನೆ ಎಂದು
ಗುಣುಗುಟ್ಟಿದರು. ೮ ಆದರೆ ಜಕ್ಕಾಯನು ನಿಂತುಕೊಂಡು ಸ್ವಾಮಿಗೆ—ಸ್ವಾಮೀ, ನೋಡು, ನನ್ನ
ಆಸ್ತಿಯಲ್ಲಿ ಅರ್ಧವನ್ನು ಬಡವರಿಗೆ ಕೊಡುತ್ತೇನೆ; ಮತ್ತು ನಾನು ಅನ್ಯಾಯವಾಗಿ ಯಾರಿಂದ
ಏನಾದರೂ ಎಳಕೊಂಡದ್ದೇಯಾದರೆ ನಾಲ್ಕರಷ್ಟು ಹಿಂದಕ್ಕೆ ಕೊಡುತ್ತೇನೆ ಎಂದು ಹೇಳಿದನು.
೯ ಇದನ್ನು ಕೇಳಿ ಯೇಸು—ಈಹೊತ್ತು ಈ ಮನೆಗೆ ರಕ್ಷಣೆಯಾಯಿತು; ಇವನು ಸಹ ಅಬ್ರಹಾಮನ

ವಂತಿಕನಲ್ಲವೇ. ೧೦ ಮನುಷ್ಯಕುಮಾರನು ಕೆಟ್ಟು ಹೋಗಿರುವದನ್ನು ಹುಡುಕಿ ರಕ್ಷಿಸುವದಕ್ಕೆ
ಬಂದನು ಎಂದು ಹೇಳಿದನು.

### ಹತ್ತು ಮೊಹರಿಗಳ ವಿಷಯವಾದ ಸಾಮ್ಯ

(ಮತ್ತಾ. ೨೫.೧೪-೩೦)

೧೧ ಅವರು ಈ ಮಾತುಗಳನ್ನು ಕೇಳುತ್ತಿರಲಾಗಿ ಯೇಸು ತಾನು ಯೆರೂಸಲೇಮಿಗೆ
ಸಮೀಪವಾಗಿದ್ದದರಿಂದಲೂ ದೇವರ ರಾಜ್ಯವು ಕೂಡಲೆ ಪ್ರತ್ಯಕ್ಷವಾಗುವ ಹಾಗಿದೆ ಎಂದು ಅವರು
ಭಾವಿಸಿದ್ದರಿಂದಲೂ ಇನ್ನೂ ಒಂದು ಸಾಮ್ಯವನ್ನು ಹೇಳಿದನು. ೧೨ ಅದೇನಂದರೆ—ಶ್ರೀಮಂತನಾದ
ಒಬ್ಬಾನೊಬ್ಬ ಮನುಷ್ಯನು ತಾನು ರಾಜ್ಯಾಧಿಕಾರವನ್ನು ಪಡೆದುಕೊಂಡು ಹಿಂತಿರುಗಿ
ಬರಬೇಕೆಂದು ದೂರದೇಶಕ್ಕೆ ಹೊರಟನು. ೧೩ ಹೊರಡುವಾಗ ತನ್ನ ಆಳುಗಳಲ್ಲಿ ಹತ್ತು
ಮಂದಿಯನ್ನು ಕರೆದು ಅವರಿಗೆ ಹತ್ತು ಮೊಹರಿಗಳನ್ನು ಕೊಟ್ಟು—ನಾನು ಬರುವತನಕ
ವ್ಯಾಪಾರಮಾಡಿಕೊಂಡಿರ್ರಿ ಎಂದು ಹೇಳಿ ಹೋದನು. ೧೪ ಆದರೆ ಅವನ ಪಟ್ಟಣದ ನಿವಾಸಿಗಳು
ಅವನನ್ನು ದ್ವೇಷಿಸಿ ಅವನ ಹಿಂದೆ ರಾಯಭಾರಿಗಳನ್ನು ಕಳುಹಿಸಿ ಇವನು ನಮ್ಮ ಮೇಲೆ
ದೊರೆತನಮಾಡುವದು ನಮಗೆ ಇಷ್ಟವಿಲ್ಲ ಎಂದು ಹೇಳಿಸಿದನು. ೧೫ ಆ ಮೇಲೆ ಅವನು
ರಾಜ್ಯಾಧಿಕಾರವನ್ನು ಪಡಕೊಂಡು ಹಿಂತಿರುಗಿ ಬಂದು ತಾನು ಹಣವನ್ನು ಕೊಟ್ಟಿದ್ದ ಆಳುಗಳು
ವ್ಯಾಪಾರದಿಂದ ಎಷ್ಟೆಷ್ಟು ಲಾಭ ಸಂಪಾದಿಸಿಕೊಂಡಿದ್ದಾರೆಂದು ತಿಳುಕೊಳ್ಳುವದಕ್ಕಾಗಿ ಅವರನ್ನು
ತನ್ನ ಬಳಿಗೆ ಕರಿಸಿದನು. ೧೬ ಮೊದಲನೆಯವನು ಆತನ ಮುಂದೆ ಬಂದು—ದೊರೆಯೇ,
ನೀನು ಕೊಟ್ಟ ಮೊಹರಿಯಿಂದ ಹತ್ತು ಮೊಹರಿಗಳು ಸಂಪಾದನೆಯಾದವು ಅನ್ನಲು
೧೭ ಅವನು ಅವನಿಗೆ—ಭಲಾ! ನೀನು ಒಳ್ಳೇ ಆಳು; ನೀನು ಬಹು ಸ್ವಲ್ಪವಾದದ್ದರಲ್ಲಿ
ನಂಬಿಕೆಯುಳ್ಳವನಾಗಿದ್ದರಿಂದ ಹತ್ತು ಗ್ರಾಮಗಳ ಮೇಲೆ ಅಧಿಕಾರಿಯಾಗಿರು ಎಂದು
ಹೇಳಿದನು. ೧೮ ಎರಡನೆಯವನು ಬಂದು—ದೊರೆಯೇ, ನೀನು ಕೊಟ್ಟ ಮೊಹರಿಯಿಮದ
ಐದು ಮೊಹರಿಗಳು ದೊರಕಿದವು ಅನ್ನಲು ೧೯ ಅವನು ಇವನಿಗೆ—ನೀನು ಸಹ ಐದು
ಗ್ರಾಮಗಳ ಮೇಲಿರು ಎಂದು ಹೇಳಿದನು. ೨೦ ಬಳಿಕ ಮತ್ತೊಬ್ಬನು ಬಂದು—ದೊರೆಯೇ,
ಇಗೋ ನೀನು ಕೊಟ್ಟ ಮೊಹರಿ. ೨೧ ನೀನು ಇಡದೆಯಿರುವದನ್ನು ಎತ್ತಿಕೊಂಡು ಹೋಗುವ
ಬಿತ್ತದೆಯಿರುವದನ್ನು ಕೊಯ್ಯುವ ಕಠಿನ ಮನುಷ್ಯನು ಎಂದು ನಿನಗೆ ಹೆದರಿ ಕೊಂಡು
ಇದನ್ನು ವಸ್ತ್ರದಲ್ಲಿ ಕಟ್ಟಿ ಇಟ್ಟು ಜಿಣಡೆಬಯ ಅಣಪಬಯ, ೨೨ ಅದಕ್ಕೆ ಅವನು—ನೀನು ಕೆಟ್ಟ
ಆಳು, ನಿನ್ನ ಮಾತಿನ ಮೇಲೆಯೇ ನಿನಗೆ ತೀರ್ಪುಮಾಡುತ್ತೇನೆ. ನಾನು ಇಡದೆಯಿರುವದನ್ನು
ಎತ್ತಿಕೊಂಡು ಹೋಗುವ ಬಿತ್ತದೆಯಿರುವದನ್ನು ಕೊಯ್ಯುವ ಕಠಿನ ಮನುಷ್ಯನು ಎಂದು
ತಿಳಿದಿಯಾ? ೨೩ ಹಾಗಾದರೆ ನೀನು ನನ್ನ ಹಣವನ್ನು ಸಾಹುಕಾರನ ಕೈಯಲ್ಲಿ ಯಾಕೆ ಕೊಡಲಿಲ್ಲ?
ಆ ಮೇಲೆ ನಾನು ಬಂದು ಅದನ್ನು ಬಡ್ಡಿ ಸಹಿತ ತೆಗೆದುಕೊಳ್ಳುತ್ತಿದ್ದೆನು ಎಂದು ಹೇಳಿ ೨೪ ಹತ್ತಿರ
ನಿಂತಿದ್ದವರಿಗೆ—ಆ ಮೊಹರಿಯನ್ನು ಇವನಿಂದ ತೆಗೆದುಕೊಂಡು ಹತ್ತು ಮೊಹರಿಗಳುಳ್ಳವನಿಗೆ
ಕೊಡಿರಿ ಎಂದು ಹೇಳಿದನು. ೨೫ ಅವರು—ದೊರೆಯೇ, ಹತ್ತು ಮೊಹರಿಗಳು ಅವನಲ್ಲಿ
ಅವೆಯಲ್ಲಾ ಎಂದು ಅವನಿಗೆ ಹೇಳಿದರು. ೨೬ ಅದಕ್ಕವನು—ಇದ್ದವರಿಗೆಲ್ಲಾ ಕೊಡಲ್ಪಡುವದು,
ಇಲ್ಲದವನ ಕಡೆಯಿಂದ ಇದ್ದದ್ದೂ ತೆಗೆಯಲ್ಪಡುವದು ಎಂದು ನಾನು ನಿಮಗೆ ಹೇಳುತ್ತೇನೆ;
೨೭ ಮತ್ತು ತಮ್ಮ ಮೇಲೆ ನಾನು ದೊರೆತನ ಮಾಡುವದು ಇಷ್ಟವಿಲ್ಲವೆಂದು ಹೇಳಿದ ಆ ನನ್ನ
ವೈರಿಗಳನ್ನು ಇಲ್ಲಿಗೆ ತಂದು ನನ್ನ ಮುಂದೆ ಸಂಹಾರ ಮಾಡಬೇಕು ಅಂದನು.

### ಯೇಸು ಅರಸನಂತೆ ಯೆರೂಸಲೇಮಿಗೆ ಪ್ರವೇಶಮಾಡಿದ್ದು.
### ದೇವಾಲಯದಲ್ಲಿದ್ದ ವ್ಯಾಪಾರಸ್ಥರನ್ನು ಹೊರಡಿಸಿದ್ದು.

(ಮತ್ತ. ೨೧.೧-೧೬; ಮಾರ್ಕ ೧೧.೧-೧೮; ಯೋಹಾ. ೧೨.೧೨-೧೬)

೨೮ ಆತನು ಈ ಮಾತುಗಳನ್ನು ಹೇಳಿದ ಮೇಲೆ ಗಟ್ಟಾ ಹತ್ತಿ ಯೆರೂಸಲೇಮಿಗೆ ಮುಂದೆಮುಂದೆ
ಹೋದನು.

೨೯ ಆ ಮೇಲೆ ಆತನು ಎಣ್ಣೇಮರಗಳ ಗುಡ್ಡ ಎನಿಸಿಕೊಳ್ಳುವ ಗುಡ್ಡದ ಬಳಿಯಲ್ಲಿರುವ
ಬೇತ್ಫಗೆಗೂ ಬೇಥಾನ್ಯಕ್ಕೂ ಸಮೀಪಿಸಿದಾಗ ಶಿಷ್ಯರಲ್ಲಿ ಇಬ್ಬರನ್ನು ಕರೆದು—ನಿಮ್ಮೆದುರಿಗಿರುವ
ಹಳ್ಳಿಗೆ ಹೋಗಿರಿ; ೩೦ ಅದರೊಳಗೆ ಸೇರುತ್ತಿರುವಾಗಲೇ ಅಲ್ಲಿ ಕಟ್ಟಿರುವ ಒಂದು
ಕತ್ತೇಮರಿಯನ್ನು ಕಾಣುವಿರಿ; ಇದು ವರೆಗೆ ಅದರಮೇಲೆ ಯಾರೂ ಹತ್ತಿಲ್ಲ; ಅದನ್ನು

ಬಿಚ್ಚಿ ಹಿಡುಕೊಂಡು ಬನ್ನಿರಿ. ೩೧ ಯಾವನಾದರೂ ನಿಮ್ಮನ್ನು—ಯಾಕೆ ಬಿಚ್ಚುತ್ತೀರಿ ಎಂದು
ಕೇಳಿದರೆ ಇದು ಸ್ವಾಮಿಯವರಿಗೆ ಬೇಕಾಗಿದೆ ಅನ್ನಿರಿ ಎಂದು ಹೇಳಿಕಳುಹಿಸಿದನು.
೩೨ ಕಳುಹಿಸಲ್ಪಟ್ಟವರು ಹೋಗಿ ಆತನು ತಮಗೆ ಹೇಳಿದಂತೆಯೇ ಕಂಡರು. ೩೩ ಅವರು ಆ
ಕತ್ತೇಮರಿಯನ್ನು ಬಿಚ್ಚುತ್ತಿರುವಾಗ ಅದರ ಯಜಮಾನರು—ಈ ಮರಿಯನ್ನು ಯಾಕೆ ಬಿಚ್ಚುತ್ತೀರಿ
ಎಂದು ಅವರನ್ನು ಕೇಳಿದ್ದಕ್ಕೆ ೩೪ ಅವರು—ಇದು ಸ್ವಾಮಿಯವರಿಗೆ ಬೇಕಾಗಿದೆ ಎಂದು
ಹೇಳಿದರು. ೩೫ ಅದನ್ನು ಯೇಸುವಿನ ಬಳಿಗೆ ತಂದು ತಮ್ಮ ಬಟ್ಟೆಗಳನ್ನು ಆ ಕತ್ತೇಮರಿಯಮೇಲೆ
ಹಾಕಿ ಯೇಸುವನ್ನು ಕೂಡ್ರಿಸಿದರು. ೩೬ ಆತನು ಹೋಗುತ್ತಿರುವಾಗ ಅವರು ತಮ್ಮ ಬಟ್ಟೆಗಳನ್ನು
ದಾರಿಯಲ್ಲಿ ಹಾಸಿದರು. ೩೭ ಆತನು ಪಟ್ಟಣವನ್ನು ಸಮೀಪಿಸಿ ಎಣ್ಣೇಮರಗಳ ಗುಡ್ಡದಿಂದ
ಇಳಿಯುವ ಸ್ಥಳಕ್ಕೆ ಬಂದಾಗ ಶಿಷ್ಯಮಂಡಲಿಯವರೆಲ್ಲಾ ಸಂತೋಷಪಡುತ್ತಾ ತಾವು ಕಂಡಿದ್ದ ಎಲ್ಲಾ
ಮಹತ್ಕಾರ್ಯಗಳ ವಿಷಯದಲ್ಲಿ —
೩೮ ಕರ್ತನ ಹೆಸರಿನಲ್ಲಿ ಬರುವ ಅರಸನಿಗೆ ಆಶೀರ್ವಾದ,
ಪರಲೋಕದಲ್ಲಿ ಮಂಗಳ,
ಮೇಲಣಲೋಕಗಳಲ್ಲಿ ಮಹಿಮೆ
ಎಂದು ಮಹಾ ಶಬ್ದದಿಂದ ದೇವರನ್ನು ಕೊಂಡಾಡುವದಕ್ಕೆ ತೊಡಗಿದರು. ೩೯ ಜನರ
ಗುಂಪಿನೊಳಗಿದ್ದ ಫರಿಸಾಯರಲ್ಲಿ ಕೆಲವರು ಆತನಿಗೆ—ಬೋಧಕನೇ, ನಿನ್ನ ಶಿಷ್ಯರನ್ನು
ಗದರಿಸು ಎಂದುಹೇಳಿದ್ದಕ್ಕೆ ೪೦ ಆತನು—ಇವರು ಸುಮ್ಮನಾದರೆ ಈ ಕಲ್ಲುಗಳೇ ಕೂಗುವವು
ಎಂದು ನಿಮಗೆ ಹೇಳುತ್ತೇನೆ ಅಂದನು. ೪೧ ತರುವಾಯ ಆತನು ಸಮೀಪಕ್ಕೆ ಬಂದಾಗ
ಪಟ್ಟಣವನ್ನು ನೋಡಿ ಅದರ ವಿಷಯವಾಗಿ ಅತ್ತು— ೪೨ ನೀನಾದರೂ ಸಮಾಧಾನಕ್ಕೆ
ಬೇಕಾದದ್ದನ್ನು ಇದೇ ದಿನದಲ್ಲಿ ತಿಳಿದುಕೊಂಡರೆ ಎಷ್ಟೋ ಒಳ್ಳೇದು. ಆದರೆ ಈಗ ಅದು
ನಿನ್ನ ಕಣ್ಣಿಗೆ ಮರೆಯಾಗಿದೆ. ೪೩-೪೪ ದೇವರು ನಿಗೆ ದರ್ಶನಕೊಟ್ಟ ಸಮಯವನ್ನು ನೀನು
ತಿಳುಕೊಳ್ಳಲಿಲ್ಲವಾದದರಿಂದ ನಿನ್ನ ವೈರಿಗಳು ಒಡ್ಡಿಕಟ್ಟಿ ನಿನ್ನ ಸುತ್ತಲೂ ಮುತ್ತಿಗೆ ಹಾಕಿ
ಎಲ್ಲಾ ಕಡೆಗಳಲ್ಲಿಯೂ ನಿನ್ನನ್ನು ಒಂದುಮಾಡಿ ನಿನ್ನನ್ನೂ ನಿನ್ನೊಳಗಿರುವ ನಿನ್ನ ಜನರನ್ನೂ
ನಿರ್ಮೂಲಮಾಡಿ ನಿನ್ನಲ್ಲಿ ಕಲ್ಲಿನ ಮೇಲೆ ಕಲ್ಲು ನಿಲ್ಲದಂತೆ ಮಾಡುವ ದಿವಸಗಳು ನಿನ್ನ
ಮೇಲೆ ಬರುವವು ಅಂದನು.
೪೫ ಬಳಿಕ ಆತನು ದೇವಾಲಯಕ್ಕೆ ಹೋಗಿ ಮಾರುವವರನ್ನು ಹೊರಡಿಸಿಬಿಡುವದಕ್ಕೆ
ಪ್ರಾರಂಭಿಸಿ ಅವರಿಗೆ— ೪೬ ನನ್ನ ಆಲಯವು ಪ್ರಾರ್ಥನಾಲಯವಾಗಿರುವದು ಎಂದು
ಬರೆದದೆಯಲ್ಲಾ; ಆದರೆ ನೀವು ಅದನ್ನು ಕಳ್ಳರ ಗವಿ ಮಾಡಿದ್ದೀರಿ ಎಂದು ಹೇಳಿದನು. ೪೭ ಮತ್ತು
ಆತನು ದಿನಾಲು ದೇವಾಲಯದಲ್ಲಿ ಉಪದೇಶಮಾಡುತ್ತಿದ್ದನು. ಅಷ್ಟರಲ್ಲಿ ಮಹಾಯಾಜಕರೂ
ಶಾಸ್ತ್ರಿಗಳೂ ಪ್ರಜೆಗಳಲ್ಲಿ ಮುಖ್ಯಸ್ಥರೂ ಆತನನ್ನು ಕೊಲ್ಲುವದಕ್ಕೆ ಸಂದರ್ಭನೋಡುತ್ತಿದ್ದರು.
೪೮ ಆದರೆ ಜನರೆಲ್ಲರು ಆತನನ್ನು ಅಂಟಿಕೊಂಡು ಉಪದೇಶವನ್ನು ಗಮನಿಸಿ ಕೇಳುತ್ತಿದ್ದದರಿಂದ
ಏನು ಮಾಡಬೇಕೋ ತೋರಲಿಲ್ಲ.

### ಶಾಸ್ತ್ರಿಗಳು ಯೇಸುವಿನ ಅಧಿಕಾರವನ್ನು ವಿಚಾರಿಸಿದಾಗ ಆತನು ತಕ್ಕ ಉತ್ತರಕೊಟ್ಟು ಅವರು ಮಾಡಿದ ದೇವದ್ರೋಹವನ್ನು ಸಾಮ್ಯಗಳಿಂದ ಸೂಚಿಸಿದ್ದು.

(ಮತ್ತಾ. ೨೧.೨೩-೪೬; ಮಾರ್ಕ ೧೧.೨೭—೧೨. ೧೨)

೨೦ ೧ ಆ ದಿವಸಗಳೊಳಗೆ ಒಂದು ದಿನ ಆತನು ದೇವಾಲಯದಲ್ಲಿ ಜನರಿಗೆ
ಉಪದೇಶಮಾಡುತ್ತಾ ಸುವಾರ್ತೆಯನ್ನು ಸಾರುತ್ತಿರಲಾಗಿ ಮಹಾಯಾಜಕರೂ ಶಾಸ್ತ್ರಿಗಳೂ
ಸಭೆಯ ಹಿರಿಯರನ್ನು ಕೂಡಿ ಕೊಂಡು ಫಕ್ಕನೆ ಬಂದು— ೨ ನೀನು ಯಾವ ಅಧಿಕಾರದಿಂದ
ಇದನ್ನೆಲ್ಲಾ ಮಾಡುತ್ತೀ? ಈ ಅಧಿಕಾರವನ್ನು ನಿಗೆ ಯಾರು ಕೊಟ್ಟರು, ನಮಗೆ ಹೇಳು ಎಂದು
ಆತನನ್ನು ಕೇಳಲು ೩ ಆತನು ಅವರಿಗೆ—ನಾನು ಸಹ ನಿಮ್ಮನ್ನು ಒಂದು ಮಾತು ಕೇಳೂತ್ತೇನೆ,
ನನಗೆ ಹೇಳಿರಿ. ೪ ದೀಕ್ಷಾಸ್ನಾನಮಾಡಿಸುವ ಅಧಿಕಾರವು ಯೋಹಾನನಿಗೆ ಪರಲೋಕದಿಂದ
ಬಂತೋ ಮನುಷ್ಯರಿಂದ ಬಂತೋ ಎಂದು ಅವರನ್ನು ಕೇಳಿದನು. ೫ ಆಗ ಅವರು—ಪರಲೋಕದಿಂದ
ಬಂತೆಂದು ನಾವು ಹೇಳಿದರೆ ನೀವು ಅವನನ್ನು ಯಾಕೆ ನಂಬಲಿಲ್ಲ ಅಂದಾನು; ೬ ಮನುಷ್ಯರಿಂದ
ಬಂತೆಂದು ಹೇಳಿದರೆ ಜನರೆಲ್ಲರೂ ಯೋಹಾನನನ್ನು ಪ್ರವಾದಿಯೆಂದು ನಂಬಿರುವದರಿಂದ
ಅವರು ನಮ್ಮನ್ನು ಕಲ್ಲೆಸೆದು ಕೊಂದಾರು ಎಂಬದಾಗಿ ತಮ್ಮ ತಮ್ಮೊಳಗೆ ಮಾತಾಡಿಕೊಂಡು ೭ ಅದು
ಎಲ್ಲಿಂದ ಬಂತೋ ನಾವರಿಯೆವು ಎಂದು ಉತ್ತರಕೊಟ್ಟರು. ೮ ಆಗ ಯೇಸು ಅವರಿಗೆ—ಇದನ್ನೆಲ್ಲಾ

ಯಾವ ಅಧಿಕಾರದಿಂದ ಮಾಡುತ್ತೇನೋ ಅದನ್ನು ನಾನೂ ನಿಮಗೆ ಹೇಳುವದಿಲ್ಲ ಎಂದು
ಹೇಳಿದನು.
೯ ಆಗ ಆತನು ಜನರಿಗೆ ಒಂದು ಸಾಮ್ಯವನ್ನು ಹೇಳುವದಕ್ಕೆ ತೊಡಗಿದನು. ಅದೇನಂದರೆ—ಒಬ್ಬ
ಮನುಷ್ಯನು ಒಂದು ದ್ರಾಕ್ಷೆಯತೋಟವನ್ನು ಮಾಡಿ ಆದನ್ನು ಒಕ್ಕಲಿಗರಿಗೆ ವಾರಕ್ಕೆ ಕೊಟ್ಟು
ಬೇರೊಂದು ದೇಶಕ್ಕೆ ಹೋಗಿ ಅಲ್ಲಿ ಬಹುಕಾಲ ಇದ್ದನು. ೧೦ ಫಲಕಾಲ ಬಂದಾಗ ದ್ರಾಕ್ಷೆಯತೋಟದ
ಹುಟ್ಟುವಳಿಯ ಪಾಲನ್ನು ಈಸಿಕೊಳ್ಳುವದಕ್ಕಾಗಿ ಒಬ್ಬ ಆಳನ್ನು ಒಕ್ಕಲಿಗರ ಬಳಿಗೆ ಕಳುಹಿಸಿದನು.
ಆದರೆ ಆ ಒಕ್ಕಲಿಗರು ಅವನನ್ನು ಹೊಡೆದು ಬರಿಗೈಲಿ ಕಳುಹಿಸಿಬಿಟ್ಟರು. ೧೧ ಆ ಧಣಿಯು
ಬೇರೊಬ್ಬ ಆಳನ್ನು ಕಳುಹಿಸಲಾಗಿ ಅವರು ಅವನನ್ನೂ ಹೊಡೆದು ಅವಮಾನಪಡಿಸಿ ಬರಿಗೈಲಿ
ಕಳುಹಿಸಿಬಿಟ್ಟರು. ೧೨ ಆ ಮೇಲೆ ಮೂರನೆಯವನನ್ನು ಕಳುಹಿಸಲು ಅವರು ಅವನನ್ನೂ
ಗಾಯವಾಗುವಷ್ಟು ಹೊಡೆದು ಹೊರಕ್ಕೆ ಅಟ್ಟಿದರು. ೧೩ ಅಗ ಆ ದ್ರಾಕ್ಷೆಯ ತೋಟದ
ಧಣಿಯು—ನಾನೇನು ಮಾಡಲಿ? ನನ್ನ ಮುದ್ದುಮಗನನ್ನು ಕಳುಹಿಸುತ್ತೇನೆ, ಒಂದು ವೇಳೆ
ಅವನಿಗಾದರೂ ಮರ್ಯಾದೆ ತೋರಿಸಾರು ಅಂದು ಕೊಂಡನು. ೧೪ ಆದರೆ (ಕಳುಹಿಸಿದಾಗ)
ಆ ಒಕ್ಕಲಿಗರು ಅವನನ್ನು ಕಂಡು—ಇವನೇ ಬಾಧ್ಯಸ್ಥನು; ಇವನನ್ನು ಕೊಂದುಹಾಕೋಣ,
ಇವನ ಸ್ವಾಸ್ತ್ಯ ನಮ್ಮದಾಗಲಿ ಎಂದು ಒಬ್ಬರಸಂಗಡಲೊಬ್ಬರು ಮಾತಾಡಿಕೊಂಡು ೧೫ ಅವನನ್ನು
ದ್ರಾಕ್ಷೆಯತೋಟದಿಂದ ಹೊರಕ್ಕೆ ದೊಬ್ಬಿ ಕೊಂದುಹಾಕಿದರು. ಹಾಗಾದರೆ ದ್ರಾಕ್ಷೆಯತೋಟದ
ಧಣಿಯು ಅವರಿಗೆ ಏನು ಮಾಡುವನು? ೧೬ ಅವನು ಬಂದು ಆ ಒಕ್ಕಲಿಗರನ್ನು ಸಂಹರಿಸಿ
ತನ್ನ ತೋಟವನ್ನು ಬೇರೆ ಜನರಿಗೆ ಮಾಡುವದಕ್ಕೆ ಕೊಡುವನು ಅಂದನು. ೧೭ ಇದನ್ನು ಜನರು
ಕೇಳಿ—ಹಾಗಾಗಬಾರದು ಅಂದರು. ಆದರೆ ಆತನು ಅವರನ್ನು ದೃಷ್ಟಿಸಿ ನೋಡಿ—ಹಾಗಾದರೆ
ಮನೆ ಕಟ್ಟುವವರು ಬೇಡವೆಂದು ಬಿಟ್ಟ ಕಲ್ಲೇ ಮುಖ್ಯವಾದ ಮೂಲೆಗಲ್ಲಾಯಿತು
ಎಂದು ಬರೆದಿರುವ ಮಾತೇನು?
೧೮ ಈ ಕಲ್ಲಿನ ಮೇಲೆ ಬೀಳುವ ಪ್ರತಿಯೊಬ್ಬನು ತುಂಡುತುಂಡಾಗುವನು; ಇದು ಯಾರ ಮೇಲೆ
ಬೀಳುವದೋ ಅವನನ್ನು ಪುಡಿಪುಡಿ ಮಾಡುವದು ಅಂದನು.
೧೯ ಶಾಸ್ತ್ರಿಗಳೂ ಮಹಾಯಾಜಕರೂ ಈ ಮಾತುಗಳನ್ನು ಕೇಳಿ ತಮ್ಮನ್ನೇ ಕುರಿತು ಈ ಸಾಮ್ಯವನ್ನು
ಹೇಳೀದನು ಎಂದು ತಿಳುಕೊಂಡು ಅದೇ ಗಳಿಗೆಯಲ್ಲಿ ಆತನನ್ನು ಹಿಡಿಯುವದಕ್ಕೆ
ಸಂದರ್ಭನೋಡಿದರು; ಆದರೆ ಜನರಿಗೆ ಭಯಪಟ್ಟರು.

### ವಿರೋಧಿಗಳು ಯೇಸುವನ್ನು ಮಾತಿನಲ್ಲಿ ಸಿಕ್ಕಿಸುವದಕ್ಕೆ ಪ್ರಯತ್ನಮಾಡಿ ಸೋತುಹೋದದ್ದು.

(ಮತ್ತಾ. ೨೨.೧೩-೨೩. ೭; ಮಾರ್ಕ ೧೨.೧೩-೪೦)

೨೦ ಆ ಮೇಲೆ ಅವರು ಯೇಸುವನ್ನು ಅಧಿಪತಿಯವಶಕ್ಕೂ ಅಧಿಕಾರಕ್ಕೂ ಒಪ್ಪಿಸಬೇಕೆಂದು
ಹೊಂಚಿ ನೋಡುವವರಾಗಿ ನೀತಿವಂತರಂತೆ ನಟಿಸುತ್ತಿರುವ ಗೂಢಚಾರರನ್ನು ಆತನ ಮಾತಿನಲ್ಲಿ
ಏನನ್ನಾದರೂ ಹಿಡಿಯುವದಕ್ಕೆ (ಆತನ ಬಳಿಗೆ) ಕಳುಹಿಸಿದರು. ೨೧ ಅವರು—ಬೋಧಕನೇ,
ನೀನು ಸರಿಯಾಗಿ ಮಾತಾಡುತ್ತಾ ಉಪದೇಶಮಾಡುತ್ತೀ, ನೀನು ಮುಖದಾಕ್ಷಿಣ್ಯವಿಲ್ಲದೆ ದೇವರ
ಮಾರ್ಗವನ್ನು ಸತ್ಯವಾಗಿ ಬೋಧಿಸುವವನಾಗಿದ್ದೀ ಎಂದು ಬಲ್ಲೆವು. ೨೨ ಕೈಸರನಿಗೆ ಕಂದಾಯ
ಕೊಡುವದು ಸರಿಯೋ ಸರಿಯಲ್ಲವೋ ಎಂದು ಆತನನ್ನು ಕೇಳಿದರು. ೨೩ ಆತನು ಅವರ
ಕುಯುಕ್ತಿಯನ್ನು ಕಂಡುಕೊಂಡು ೨೪ ಅವರಿಗೆ—ನನಗೆ ಒಂದು ಹಣವನ್ನು ತೋರಿಸಿರಿ. ಇದರಲ್ಲಿ
ಯಾರ ತಲೆಯೂ ಮುದ್ರೆಯೂ ಅದೆ ಎಂದು ಕೇಳಿದ್ದಕ್ಕೆ ಅವರು—ಕೈಸರನದು ಅಂದರು. ೨೫ ಆತನು
ಅವರಿಗೆ—ಹಾಗಾದರೆ ಕೈಸರನದನ್ನು ಕೈಸರನಿಗೆ ಕೊಡಿರಿ, ದೇವರದನ್ನು ದೇವರಿಗೆ ಕೊಡಿರಿ
ಎಂದು ಹೇಳಿದನು. ೨೬ ಆತನ ಮಾತಿನಲ್ಲಿ ಅವರು ಜನರ ಮುಂದೆ ಏನೂ ಹಿಡಿಯಲಾರದೆ ಆತನು
ಕೊಟ್ಟ ಉತ್ತರಕ್ಕೆ ಆಶ್ಚರ್ಯಪಟ್ಟು ಸುಮ್ಮಗಾದರು.
೨೭ ತರುವಾಯ ಪುನರುತ್ಥಾನವಿಲ್ಲವೆಂದು ಹೇಳುವವರಾದ ಸದ್ದುಕಾಯರಲ್ಲಿ ಕೆಲವರು ಬಂದು
ಆತನಿಗೆ ಪ್ರಶ್ನೆಮಾಡಿದ್ದೇನಂದರೆ— ೨೮ ಬೋಧಕನೇ, ಅಣ್ಣನಾದವನು ಹೆಂಡತಿಯುಳ್ಳವನಾಗಿದ್ದು
ಮಕ್ಕಳಿಲ್ಲದೆ ಸತ್ತರೆ ಅವನ ತಮ್ಮನು ಆಕೆಯನ್ನು ಮದುವೆಮಾಡಿಕೊಂಡು ತನ್ನ ಅಣ್ಣನಿಗೆ
ಸಂತಾನವನ್ನು ಪಡೆಯಬೇಕೆಂದು ಮೋಶೆಯು ನಮಗೆ ಬರದಟ್ಟನಷ್ಟೆ. ೨೯ ಒಳ್ಳೇದು,
ಏಳು ಮಂದಿ ಅಣ್ಣತಮ್ಮಂದಿರಿದ್ದರು. ಮೊದಲನೆಯವನು ಹೆಂಡತಿಯನ್ನು ಮಾಡಿಕೊಂಡು
ಮಕ್ಕಳಿಲ್ಲದೆ ಸತ್ತನು. ೩೦-೩೧ ಎರಡನೆಯವನೂ ಅವನ ತರುವಾಯ ಮೂರನೆಯವನೂ
ಆಕೆಯನ್ನು ಮದುವೆಮಾಡಿಕೊಂಡರು. ಇದೇ ರೀತಿಯಾಗಿ ಏಳು ಮಂದಿಯೂ ಮಾಡಿಕೊಂಡು

ಮಕ್ಕಳಿಲ್ಲದೆ ಸತ್ತರು. ೩೨ ಕಡೆಯಲ್ಲಿ ಆ ಸ್ತ್ರೀಯೂ ಸತ್ತಳು. ೩೩ ಹಾಗಾದರೆ ಪುನರುತ್ಥಾನದಲ್ಲಿ
ಆ ಸ್ತ್ರೀಯು ಅವರೊಳಗೆ ಯಾರ ಹೆಂಡತಿಯಾಗಿರುವಳು? ಆಕೆಯನ್ನು ಏಳು ಮಂದಿಯೂ
ಮದುವೆಮಾಡಿಕೊಂಡಿದ್ದರಲ್ಲಾ ಅಂದರು. ೩೪ ಯೇಸು ಅವರಿಗೆ—ಈ ಲೋಕದ ಜನರು
ಮದುವೆಮಾಡಿಕೊಳ್ಳುತ್ತಾರೆ, ಮದುವೆಮಾಡಿಕೊಡುತ್ತಾರೆ; ೩೫ ಆದರೆ ಆ ಲೋಕವನ್ನೂ
ಸತ್ತವರೊಳಗಿಂದ ಪುನರುತ್ಥಾನವನ್ನೂ ಪಡೆಯುವದಕ್ಕೆ ಯೋಗ್ಯರೆನಿಸಿಕೊಂಡಿರುವವರು
ಮದುವೆಮಾಡಿಕೊಳ್ಳುವದೂ ಇಲ್ಲ, ಮಾಡಿಕೊಡುವದೂ ಇಲ್ಲ. ೩೬ ಅವರು ಇನ್ನು ಮರಣಕ್ಕೆ
ಗುರಿಯಾಗುವದೇ ಇಲ್ಲ. ಪುನರುತ್ಥಾನವನ್ನು ಹೊಂದಿದವರಾಗಿದ್ದು ದೇವದೂತರಿಗೆ
ಸರಿಸಮಾನರೂ ದೇವರ ಮಕ್ಕಳೂ ಆಗಿದ್ದಾರೆ. ೩೭ ಸತ್ತವರು ಬದುಕಿ ಏಳುತ್ತಾರೆಂಬದನ್ನು
ಮೋಶೆಯೂ ಸೂಚಿಸಿದ್ದಾನೆ. ಅವನು ಪೊದೆಯ ಸಂಗತಿಯಿರುವ ಅಧ್ಯಾಯದಲ್ಲಿ ಕರ್ತನನ್ನು
ಅಬ್ರಹಾಮನ ದೇವರು ಇಸಾಕನ ದೇವರು ಯಾಕೋಬನ ದೇವರು ಎಂದು ಹೇಳಿದ್ದಾನೆ.
೩೮ ದೇವರು ಜೀವಿತರಿಗೆ ದೇವರಾಗಿದ್ದಾನೆ ಹೊರತು ಜೀವವಿಲ್ಲದವರಿಗೆ ಅಲ್ಲ. ಆತನಿಗೆ
ಎಲ್ಲರೂ ಜೀವಿಸುವವರೇ ಎಂದು ಹೇಳಿದನು. ೩೯ ಶಾಸ್ತ್ರಿಗಳಲ್ಲಿ ಕೆಲವರು—ಬೋಧಕನೇ,
ಚೆನ್ನಾಗಿ ಹೇಳಿದಿ ಅಂದರು. ೪೦ ಆತನನ್ನು ಇನ್ನೇನು ಕೇಳುವದಕ್ಕೂ ಅವರಿಗೆ ಧೈರ್ಯವಿಲ್ಲದೆ
ಹೋಯಿತು.

೪೧ ಆಗ ಆತನು—ಬರಬೇಕಾದ ಕ್ರಿಸ್ತನು ದಾವೀದನ ಮಗನೆಂದು ಹೇಳುತ್ತಾರಲ್ಲಾ, ಅದು
ಹೇಗಾದೀತು? ೪೧ ೪೨-೪೩ ನಾನು ನಿನ್ನ ವಿರೋಧಿಗಳನ್ನು ನಿನ್ನ ಪಾದಗಳಿಗೆ ಪೀಠವಾಗ ಮಾಡುವ
ತನಕ

ನನ್ನ ಬಲಗಡೆಯಲ್ಲಿ ಕೂತುಕೊಂಡಿರು ಎಂದು ಕರ್ತನು ನನ್ನ ಒಡೆಯನಿಗೆ ನುಡಿದನು

ಎಂಬದಾಗಿ ಕೀರ್ತನಗ್ರಂಥದಲ್ಲಿ ದಾವೀದನೇ ಹೇಳುತ್ತಾನಷ್ಟೆ. ೪೪ ದಾವೀದನು ಆತನನ್ನು
ಒಡೆಯನೆಂದು ಹೇಳಿದಮೇಲೆ ಆತನು ಅವನಿಗೆ ಮಗನಾಗುವದು ಹೇಗೆ ಎಂದು ಅವರನ್ನು
ಕೇಳಿದನು.

೪೫ ಜನರೆಲ್ಲರು ಕೇಳುತ್ತಿರುವಲ್ಲಿ ಆತನು ತನ್ನ ಶಿಷ್ಯರಿಗೆ ಹೇಳಿದ್ದೇನಂದರೆ—
೪೬ ಶಾಸ್ತ್ರಿಗಳ ವಿಷಯದಲ್ಲಿ ಎಚ್ಚರಿಕೆಯಾಗಿರ್ರಿ. ಅವರು ನಿಲುವಂಗಿಗಳನ್ನು ತೊಟ್ಟುಕೊಂಡು
ತಿರುಗಾಡುವದರಲ್ಲಿ ಮನಸ್ಸುಳ್ಳವರೂ, ಅಂಗಡಿಬೀದಿಗಳಲ್ಲಿ ನಮಸ್ಕಾರಗಳು, ಸಭಾಮಂದಿರಗಳಲ್ಲಿ
ಮುಖ್ಯ ಪೀಠಗಳು, ಔತಣಪ್ರಸ್ತಗಳಲ್ಲಿ ಪ್ರಥಮಸ್ಥಾನ, ಇವುಗಳಲ್ಲಿ ಇಷ್ಟವುಳ್ಳವರೂ ಆಗಿದ್ದಾರೆ.
೪೭ ಅವರು ವಿಧವೆಯರ ಮನೆಗಳನ್ನು ನುಂಗಿ ನಟನೆಗಾಗಿ ದೇವರಿಗೆ ಉದ್ದವಾದ
ಪ್ರಾರ್ಥನೆಗಳನ್ನು ಮಾಡುತ್ತಾರೆ; ಇಂಥವರು ಹೆಚ್ಚಾದ ದಂಡನೆಯನ್ನು ಹೊಂದುವರು ಅಂದನು.

### ದೇವರಿಗೆ ಕಾಣಿಕೆಕೊಡುವವರ ತಾರತಮ್ಯನನ್ನು ಕುರಿತು ಮಾತಾಡಿದ್ದು.

(ಮಾರ್ಕ ೧೨.೪೧-೪೪)

೨೧ ೧ ಯೇಸು ತಲೆಯೆತ್ತಿ ನೋಡಿ ಐಶ್ವರ್ಯವಂತರು ಕಾಣಿಕೆಗಳನ್ನು ಬೊಕ್ಕಸದಲ್ಲಿ
ಹಾಗುವದನ್ನು ಕಂಡನು. ೨ ಆಗ ಒಬ್ಬ ಬಡ ವಿಧವೆಯು ಬಂದು ಎರಡು ಕಾಸುಗಳನ್ನು ಹಾಕಲು
ಆತನು ಅದನ್ನು ನೋಡಿ— ೩ ನಿಮಗೆ ಸತ್ಯವಾಗಿ ಹೇಳುತ್ತೇನೆ, ಈ ಬಡ ವಿಧವೆ ಎಲ್ಲರಿಗಿಂತಲೂ
ಹೆಚ್ಚು ಹಾಕಿದ್ದಾಳೆ. ೪ ಹೇಗಂದರೆ ಅವರೆಲ್ಲರು ತಮಗೆ ಸಾಕಾಗಿ ಮಿಕ್ಕದ್ದರಲ್ಲಿ ಕಾಣಿಕೆಕೊಟ್ಟರು;
ಈಕೆಯೋ ತನ್ನ ಬಡತನದಲ್ಲಿಯೂ ತನಗಿದ್ದ ಜೀವನವನ್ನೆಲ್ಲಾ ಕೊಟ್ಟುಬಿಟ್ಟಳು ಅಂದನು.

### ಯೇಸು ಯೆರೂಸಲೇಮಿನ ನಾಶವನ್ನೂ ಯುಗದ ಸಮಾಪ್ತಿಯನ್ನೂ ಮುಂತಿಳಿಸಿದ್ದು.

(ಮತ್ತಾ. ೨೪.೧-೪೪; ಮಾರ್ಕ ೧೩.೧-೩೭)

೫ ಕೆಲವರು ದೇವಾಲಯದ ವಿಷಯದಲ್ಲಿ ಅದು ಅಂದವಾದ ಕಲ್ಲುಗಳಿಂದಲೂ ಹರಕೆಯ
ಒಡವೆಗಳಿಂದಲೂ ಅಲಂಕಾರವಾಗಿದೆ ಎಂದು ಹೇಳುತ್ತಿರುವಾಗ ೬ ಆತನು—ನೀವು
ಇವುಗಳನ್ನು ನೋಡುತ್ತೀರಲ್ಲಾ, ಇಲ್ಲಿ ಕಲ್ಲಿನ ಮೇಲೆ ಕಲ್ಲು ಉಳಿಯದೆ ಎಲ್ಲಾ ಕೆಡವಲ್ಪಡುವ
ದಿವಸಗಳು ಬರುವವು ಅಂದನು. ೭ ಅವರು—ಬೋಧಕನೇ, ಅದು ಯಾವಾಗ ಆಗುವದು?
ಅದು ಸಂಭವಿಸುವದಕ್ಕಿರುವಾಗ ಯಾವ ಸೂಚನೆ ತೋರುವದು ಎಂದು ಆತನನ್ನು ಕೇಳಲು
೮ ಆತನು ಹೇಳಿದ್ದೇನಂದರೆ—ನೀವು ಮೋಸಹೋಗದಂತೆ ನೋಡಿಕೊಳ್ಳಿರಿ. ಯಾಕಂದರೆ
ಅನೇಕರು ಬಂದು ನನ್ನ ಹೆಸರನ್ನು ಎತ್ತಿಕೊಂಡು ನಾನು ಕ್ರಿಸ್ತನು ನಾನು ಕ್ರಿಸ್ತನು ಎಂತಲೂ ಆ ಕಾಲ
ಹತ್ತಿರವಾಯಿತು ಎಂತಲೂ ಹೇಳುವರು; ಅವರ ಹಿಂದೆ ಹೋಗಬೇಡಿರಿ. ೯ ಇದಲ್ಲದೆ ಯುದ್ಧಗಳೂ

ಗಲಿಬಿಲಿಗಳೂ ಆಗುವದನ್ನು ನೀವು ಕೇಳುವಾಗ ದಿಗಿಲು ಪಡಬೇಡಿರಿ; ಯಾಕಂದರೆ ಇದೆಲ್ಲಾ
ಮೊದಲು ಆಗುವದು ಅಗತ್ಯ; ಆದರೂ ಕೂಡಲೆ ಅಂತ್ಯ ಬರುವದಿಲ್ಲ ಅಂದನು.
೧೦ ಆಗ ಆತನು ಅವರಿಗೆ ಹೇಳಿದ್ದೇನಂದರೆ—ಜನಕ್ಕೆ ವಿರೋಧವಾಗಿ ಜನವೂ ರಾಜ್ಯಕ್ಕೆ
ವಿರೋಧವಾಗಿ ರಾಜ್ಯವೂ ಏಳುವವು; ೧೧ ಮತ್ತು ಮಹಾಭೂಕಂಪಗಳಾಗುವವು; ಅಲ್ಲಲ್ಲಿ ಬರಗಳೂ
ಉಪದ್ರವಗಳೂ ಬರುವವು; ಉತ್ಪಾತಗಳೂ ಆಕಾಶದಲ್ಲಿ ಮಹಾ ಸೂಚನೆಗಳೂ ತೋರುವವು.
೧೨ ಆದರೆ ಇವೆಲ್ಲಾ ನಡೆಯುವದಕ್ಕಿಂತ ಮುಂಚೆ ಅವರು ನಿಮ್ಮನ್ನು ಹಿಡಿದು ಸಭಾಮಂದಿರಗಳ
ಮತ್ತು ಸೆರೆಮನೆಗಳ ಅಧಿಕಾರಸ್ಥರ ವಶಕ್ಕೆ ಕೊಟ್ಟು ನನ್ನ ಹೆಸರಿನ ನಿಮಿತ್ತವಾಗಿ ಅರಸುಗಳು
ಮುಂದಕ್ಕೂ ಅಧಿಪತಿಗಳ ಮುಂದಕ್ಕೂ ತೆಗೆದುಕೊಂಡುಹೋಗಿ ಹಿಂಸೆ ಪಡಿಸುವರು.
೧೩ ಇದು ಸಾಕ್ಷಿಹೇಳುವದಕ್ಕೆ ನಿಮಗೆ ಅನುಕೂಲವಾಗುವದು. ೧೪ ಆದದರಿಂದ ಏನು ಉತ್ತರ
ಕೊಡಬೇಕೆಂಬ ವಿಷಯದಲ್ಲಿ ನಾವು ಮುಂದಾಗಿ ಯೋಚಿಸುವದಿಲ್ಲವೆಂದು ನಿಮ್ಮ
ಮನಸ್ಸಿನಲ್ಲಿ ನಿಶ್ಚಯಮಾಡಿಕೊಳ್ಳಿರಿ. ೧೫ ಯಾಕಂದರೆ ನಿಮ್ಮ ವಿರೋಧಿಗಳೆಲ್ಲರೂ
ಎದುರುನಿಲ್ಲುವದಕ್ಕೂ ಎದುರುಮಾತಾಡುವದಕ್ಕೂ ಆಗದಂಥ ಬಾಯನ್ನೂ ಬುದ್ಧಿಯನ್ನೂ ನಾನೇ
ನಿಮಗೆ ಕೊಡುತ್ತೇನೆ. ೧೬ ಆದರೆ ತಂದೆತಾಯಿಗಳೂ ಅಣ್ಣತಮ್ಮಂದಿರೂ ಬಂಧುಬಾಂಧವರೂ
ಸ್ನೇಹಿತರೂ ನಿಮ್ಮನ್ನು ಒಪ್ಪಿಸಿಕೊಡುವರು; ಮತ್ತು ನಿಮ್ಮಲ್ಲಿ ಕೆಲವರನ್ನು ಕೊಲ್ಲಿಸುವರು.
೧೭ ಇದಲ್ಲದೆ ನನ್ನ ಹೆಸರಿನ ನಿಮಿತ್ತ ನಿಮ್ಮನ್ನು ಎಲ್ಲರೂ ಹಗೆಮಾಡುವರು. ೧೮ ಆದರೂ
ನಿಮ್ಮದೊಂದು ತಲೆಕೂದಲಾದರೂ ನಾಶವಾಗುವದಿಲ್ಲ. ೧೯ ನಿಮ್ಮ ಸ್ಥೈರಣೆಯಿಂದ ನಿಮ್ಮ
ಪ್ರಾಣಗಳನ್ನು ಪಡಕೊಳ್ಳುವಿರಿ. ೨೦ ಆದರೆ ದಂಡುಗಳು ಯೆರೂಸಲೇಮ್ ಪಟ್ಟಣಕ್ಕೆ
ಮುತ್ತಿಗೆ ಹಾಕಿರುವದನ್ನು ನೀವು ಕಾಣುವಾಗ ಅದು ಹಾಳಾಗುವ ಕಾಲ ಸಮೀಪವಾಯಿತೆಂದು
ತಿಳುಕೊಳ್ಳಿರಿ. ೨೧ ಆಗ ಯೂದಾಯದಲ್ಲಿರುವವರು ಬೆಟ್ಟಗಳಿಗೆ ಓಡಿಹೋಗಲಿ; ಆ
ಪಟ್ಟಣದಲ್ಲಿರುವವರು ಅದರೊಳಗಿಂದ ಹೊರಟುಹೋಗಲಿ; ಹಳ್ಳಿಯವರು ಅದರೊಳಕ್ಕೆ
ಹೋಗದಿರಲಿ. ೨೨ ಯಾಕಂದರೆ ಬರೆದಿರುವದೆಲ್ಲಾ ನೆರವೇರುವದಕ್ಕಾಗಿ ಅವು ದಂಡನೆಯ
ದಿವಸಗಳಾಗಿವೆ. ೨೩ ಆ ದಿನಗಳಲ್ಲಿ ಬಸುರಿಯರಿಗೂ ಮೊಲೆಕೂಸಿರುವ ಹೆಂಗಸರಿಗೂ
ಆಗುವ ಕಷ್ಟವನ್ನು ಏನು ಹೇಳಲಿ! ಈ ಸೀಮೆಯ ಮೇಲೆ ಮಹಾವಿಪತ್ತೂ ಈ ಜನರಿಗೆ
ಉಗ್ರದಂಡನೆಯೂ ಆಗುವವು. ೨೪ ಅವರು ಕತ್ತಿಯ ಬಾಯಿಗೆ ಬೀಳುವರು; ಅವರನ್ನು
ಅನ್ಯದೇಶಗಳಿಗೆಲ್ಲಾ ಸೆರೆಹಿಡಿದುಕೊಂಡು ಹೋಗುವರು; ಅನ್ಯದೇಶದವರ ಸಮಯಗಳು
ಪೂರೈಸುವ ತನಕ ಯೆರೂಸಲೇಮ್ ಪಟ್ಟಣವು ಅನ್ಯದೇಶದವರಿಂದ ತುಳಿದಾಡಲ್ಪಡುತ್ತಿರುವದು.
೨೫ ಇದಲ್ಲದೆ ಸೂರ್ಯ ಚಂದ್ರ ನಕ್ಷತ್ರಗಳಲ್ಲಿ ಸೂಚನೆಗಳು ತೋರುವವು. ಭೂಮಿಯ ಮೇಲೆ
ಸಮುದ್ರದ ಮತ್ತು ತೆರೆಗಳ ಘೋಷದ ನಿಮಿತ್ತವಾಗಿ ಜನಗಳಿಗೆ ದಿಕ್ಕು ಕಾಣದೆ ಸಂಕಟವು
ಉಂಟಾಗುವದು. ೨೬ ಆಕಾಶದ ಶಕ್ತಿಗಳು ಕದಲುವದರಿಂದ ಮನುಷ್ಯರು ಭಯಹಿಡಿದವರಾಗಿ
ಲೋಕಕ್ಕೆ ಏನು ಬರುವದೋ ಎಂದು ಎದುರುನೋಡುತ್ತಾ ಪ್ರಣಹೋದಂತಾಗುವರು. ೨೭ ಾಗ
ಮನುಷ್ಯಕುಮಾರನು ಬಲದಿಂದಲೂ ಬಹುಮಹಿಮೆಯಿಂದಲೂ ಮೇಘದಲ್ಲಿ ಬರುವದನ್ನು
ಕಾಣುವರು. ೨೮ ಆದರೆ ಇವು ಸಂಭವಿಸುವದಕ್ಕೆ ತೊಡಗುವಾಗ ಮೇಲಕ್ಕೆ ನೋಡಿರಿ, ನಿಮ್ಮ
ತಲೆ ಎತ್ತಿರಿ; ನಿಮ್ಮ ಬಿಡುಗಡೆಯು ಸಮೀಪವಾಗಿದೆ ಅಂದನು. ೨೯ ಆತನು ಅವರಿಗೆ
ಒಂದು ಸಾಮ್ಯಕೊಟ್ಟು ಹೇಳಿದ್ದೇನಂದರೆ—ಅಂಜೂರ ಮುಂತಾದ ಮರಗಳನ್ನೂ ನೋಡಿರಿ.
೩೦ ಅವರು ಚಿಗುರಿದ ಕೂಡಲೆ ನೀವು ಅಪನ್ನು ಕಂಡು ಈಗ ಬೇಸಿಗೆಯು ಹತ್ತಿರವಾಯಿತೆಂದು
ನೀವಾಗಿ ತಿಳುಕೊಳ್ಳುತ್ತೀರಲ್ಲಾ. ೩೧ ಹಾಗೆಯೇ ನೀವು ಸಹ ಇವುಗಳಾಗುವದನ್ನು ನೋಡುವಾಗ
ದೇವರ ರಾಜ್ಯವು ಹತ್ತಿರವದೆ ಎಂದು ತಿಳುಕೊಳ್ಳಿರಿ. ೩೨ ಎಲ್ಲಾ ಆಗುವ ತನಕ ಈ ಸಂತತಿಯು
ಅಳಿದು ಹೋಗುವದೇ ಇಲ್ಲವೆಂದು ನಿಮಗೆ ಸತ್ಯವಾಗಿ ಹೇಳುತ್ತೇನೆ. ೩೩ ಭೂಮ್ಯಾಕಾಶಗಳು
ಅಳಿದುಹೋಗುವವು, ಆದರೆ ನನ್ನ ಮಾತುಗಳು ಅಳಿದುಹೋಗುವದೇ ಇಲ್ಲ.
೩೪ ನಿಮ್ಮ ವಿಷಯದಲ್ಲಿ ಜಾಗರೂಕರಾಗಿರ್ರಿ. ಅತಿ ಭೋಜನದ ಮದದಿಂದಲೂ
ಅಮಲಿನಿಂದಲೂ ಪ್ರಪಂಚದ ಚಿಂತೆಗಳಿಂದಲೂ ನಿಮ್ಮ ಹೃದಯಗಳು ಭಾರವಾಗಿರಲಾಗಿ ಆ
ದಿವಸವು ನಿಮ್ಮ ಮೇಲೆ ಉರ್ಲನಂತೆ ಫಕ್ಕನೆ ಬಂದೀತು. ೩೫ ಆ ದಿವಸವು ಭೂನಿವಾಸಿಗಳೆಲ್ಲರ
ಮೇಲೆ ಬರುವದು. ೩೬ ಆದರೆ ಬರುವದಕ್ಕಿರುವ ಇವೆಲ್ಲವುಗಳೊಳಗಿಂದ ತಪ್ಪಿಸಿಕೊಳ್ಳುವದಕ್ಕೂ
ಮನುಷ್ಯಕುಮಾರನ ಮುಂದೆ ನಿಂತುಕೊಳ್ಳುವದಕ್ಕೂ ನೀವು ಪೂರ್ಣ ಶಕ್ತರಾಗುವಂತೆ ಎಲ್ಲಾ
ಕಾಲದಲ್ಲಿಯೂ ದೇವರಿಗೆ ವಿಜ್ಞಾಪನೆಮಾಡಿಕೊಳ್ಳುತ್ತಾ ಎಚ್ಚರವಾಗಿರ್ರಿ ಅಂದನು.

### ಅಧಿಕಾರಿಗಳು ಯೇಸುವನ್ನು ಕೊಲ್ಲುವದಕ್ಕೆ ಉಪಾಯಮಾಡಿದ್ದು.

(ಮತ್ತಾ. ೨೬.೧-೫; ೧೪-೧೬; ಮಾರ್ಕ ೧೪.೧,೨,೧೦,೧೧)

೩೭ ಆತನು ಹಗಲು ದೇವಾಲಯದಲ್ಲಿ ಉಪದೇಶಮಾಡುತ್ತಾ ರಾತ್ರಿ ಪಟ್ಟಣದ ಹೊರಗೆ ಹೋಗಿ
ಎಣ್ಣೇ ಮರಗಳ ತೋಪು ಎನಿಸಿಕೊಳ್ಳುವ ಗುಡ್ಡದಲ್ಲಿ ಇಳುಕೊಳ್ಳುತ್ತಾ ಇದ್ದನು. ೩೮ ಜನರೆಲ್ಲರು ಆತನ
ಉಪದೇಶವನ್ನು ಕೇಳಬೇಕೆಂದು ಬೆಳಿಗ್ಗೆ ಎದ್ದು ದೇವಾಲಯಕ್ಕೆ ಆತನ ಬಳಿಗೆ ಬರುತ್ತಿದ್ದರು.

೨೨ ೧ ಹುಳಿಯಿಲ್ಲದ ರೊಟ್ಟಿಯನ್ನು ತಿನನ್ಉವ ಪಸ್ಕವೆಂಬ ಹಬ್ಬವು ಹತ್ತಿರವಾದಾಗ
೨ ಮಹಾಯಾಜಕರೂ ಶಾಸ್ತ್ರಿಗಳೂ ಯೇಸುವನ್ನು ಕೊಲ್ಲಬೇಕೆಂದಿದ್ದು ಜನರಿಗೆ ಹೆದರಿ
ತಕ್ಕ ಮಾರ್ಗವನ್ನು ಹುಡುಕುತ್ತಿದ್ದರು. ೩ ಆಗ ಸೈತಾನನು ಹನ್ನೆರಡು ಮಂದಿಶಿಷ್ಯರ ಲೆಕ್ಕದಲ್ಲಿ
ಸೇರಿದವನಾದ ಇಸ್ಕರಿಯೋತೆಂಬ ಯೂದನಲ್ಲಿ ಪ್ರವೇಶಿಸಲು ಅವನು ೪ ಮಹಾಯಾಜಕರ
ಬಳಿಗೂ ಕಾವಲಿನ ದಳವಾಯಿಗಳ ಬಳಿಗೂ ಹೋಗಿ ತಾನು ಯೇಸುವನ್ನು ಹಿಡುಕೊಡುವ
ಉಪಾಯವನ್ನು ಕುರಿತು ಅವರ ಸಂಗಡ ಮಾತಾಡಿದನು. ೫ ಅವರು ಸಂತೋಷಪಟ್ಟು ನಿನಗೆ ಹಣ
ಕೊಡುತ್ತೇವೆಂದು ಒಪ್ಪಂದ ಮಾಡಲು ೬ ಅವನು ಒಡಂಬಟ್ಟು ಆತನನ್ನು ಗದ್ದಲವಾಗದಂತೆ ಅವರಿಗೆ
ಹಿಡುಕೊಡುವದಕ್ಕೆ ಅನುಕೂಲವಾದ ಸಮಯವನ್ನು ನೋಡುತ್ತಿದ್ದನು.

### ಯೇಸು ತನ್ನ ಶಿಷ್ಯರ ಸಂಗಡ ಕಡೇ ಭೋಜನ ಮಾಡಿದ್ದು.

(ಮತ್ತಾ. ೨೬.೧೭-೨೯; ಮಾರ್ಕ ೧೪.೧೨-೨೫; ಯೋಹಾ. ೧೩.೧-೩೫; ೧ ಕೊರಿ. ೧೧.೨೩-೨೫)

೭ ಹುಳಿಯಿಲ್ಲದ ರೊಟ್ಟಿಯನ್ನು ತಿನ್ನುವ ದಿವಸಗಳಲ್ಲಿ ಪಸ್ಕದ ಕುರಿಮರಿಯನ್ನು ಕೊಯ್ಯ
ತಕ್ಕ ದಿವಸ ಬಂದಾಗ ೮ ಯೇಸು ಪೇತ್ರನಿಗೂ ಯೋಹಾನನಿಗೂ— ನೀವು ಹೋಗಿ ನಾವು
ಪಸ್ಕದ ಊಟಮಾಡುವಂತೆ ಸಿದ್ಧಮಾಡಿರಿ ಎಂಧು ಹೇಳಿ ಅವರನ್ನು ಕಳುಹಿಸಿದನು. ೯ ಅವರು—
ನಾವು ಎಲ್ಲಿ ಸಿದ್ಧಮಾಡಬೇಕನ್ನುತ್ತೀ ಎಂದು ಆತನನ್ನು ಕೇಳಲು ೧೦ ಆತನು ಅವರಿಗೆ —
ನೋಡಿರಿ, ನೀವು ಪಟ್ಟಣದೊಳಕ್ಕೆ ಹೋದ ಮೇಲೆ ಒಬ್ಬ ಮನುಷ್ಯನು ತುಂಬಿದ ಕೊಡವನ್ನು
ಹೊತ್ತುಕೊಂಡುನಿಮ್ಮೆದುರಿಗೆ ಬರುವನು. ಅವನು ಹೋಗುವ ಮನೆಗೆ ನೀವು ಅವನ ಹಿಂದೆ
ಹೋಗಿ ೧೧ ಆ ಮನೆಯ ಯಜಮಾನನಿಗೆ—ನಮ್ಮ ಬೋಧಕನು ತನ್ನ ಶಿಷ್ಯರ ಸಂಗಡ ಪಸ್ಕದ
ಊಟವನ್ನು ಮಾಡುವದಕ್ಕೆ ಭೋಜನಶಾಲೆ ಎಲ್ಲಿ ಎಂದು ನಿನ್ನನ್ನು ಕೇಳುತ್ತಾನೆ ಎಂಬದಾಗಿ
ಹೇಳಿರಿ. ೧೨ ಅವನು ತಕ್ಕ ಸಾಮಾನಿಟ್ಟಿರುವ ಮೇಲಂತಸ್ತಿನ ದೊಡ್ಡ ಕೊಠಡಿಯನ್ನು ನಿಮಗೆ
ತೋರಿಸುವನು; ಅಲ್ಲಿ ಸಿದ್ಧ ಮಾಡಿರಿ ಎಂದು ಹೇಳಿ ಕಳುಹಿಸಿದನು. ೧೩ ಅವರು ಹೊರಟು ಆತನು
ತಮಗೆ ಹೇಳಿದಂತೆ ಕಂಡು ಪಸ್ಕಕ್ಕೆ ಸೌರಿಸಿದರು.

೧೪ ಗಳಿಗೆ ಬಂದಾಗ ಆತನು ತನ್ನ ಹನ್ನೆರಡು ಮಂದಿ ಅಪೊಸ್ತಲರ ಸಂಗಡ ಊಟಕ್ಕೆ
ಕೂತುಕೊಂಡನು. ೧೫ ಆಗ ಆತನು ಅವರಿಗೆ—ನಾನು ಶ್ರಮೆ ಅನುಭವಿಸುವದಕ್ಕಿಂತ ಮುಂಚೆ
ನಿಮ್ಮ ಸಂಗಡ ಈ ಪಸ್ಕದ ಊಟವನ್ನು ಮಾಡುವದಕ್ಕೆ ಕೂತೂಹಲದಿಂದ ಅಪೇಕ್ಷಿಸಿದ್ದೇನೆ.
೧೬ ನಾನು ನಿಮಗೆ ಹೇಳುತ್ತೇನೆ, ಇದು ದೇವರ ರಾಜ್ಯದಲ್ಲಿ ನೆರವೇರುವ ತನಕ ನಾನು
ಇನ್ನು ಮೇಲೆ ಪಸ್ಕದ ಊಟವನ್ನು ಮಾಡುವದೇ ಇಲ್ಲ ಎಂದು ಹೇಳಿದನು. ೧೭ ಆ ಮೇಲೆ
ಆತನು (ದ್ರಾಕ್ಷಾರಸದ) ಪಾತ್ರೆಯನ್ನು ತೆಗೆದುಕೊಂಡು ದೇವರ ಸ್ತೋತ್ರಮಾಡಿ—ಇದನ್ನು
ತಕ್ಕೊಂಡು ನಿಮ್ಮಲ್ಲಿ ಹಂಚಿಕೊಳ್ಳಿರಿ. ೧೮ ಇಂದಿನಿಂದ ದೇವರ ರಾಜ್ಯವು ಬರುವ ತನಕ ನಾನು
ದ್ರಾಕ್ಷಾರಸವನ್ನು ಕುಡಿಯುವದೇ ಇಲ್ಲವೆಂದು ನಿಮಗೆ ಹೇಳುತ್ತೇನೆ ಅಂದನು. ೧೯ ಬಳಿಕ
ಆತನು ರೊಟ್ಟಿಯನ್ನು ತೆಗೆದುಕೊಂಡು ಸ್ತೋತ್ರಮಾಡಿ ಮುರಿದು ಅವರಿಗೆ ಕೊಟ್ಟು—ಇದು
ನಿಮಗೋಸ್ಕರ ಕೊಟ್ಟಿರುವ ನನ್ನ ದೇಹ; ನನ್ನನ್ನು ನೆನಸಿಕೊಳ್ಳುವದಕ್ಕೋಸ್ಕರ ಹೀಗೆ ಮಾಡಿರಿ
ಅಂದನು. ೨೦ ಊಟವಾದಮೇಲೆ ಆತನು ಅದೇ ರೀತಿಯಾಗಿ ಪಾತ್ರೆಯನ್ನು ತೆಗೆದುಕೊಂಡು
— ಈ ಪಾತ್ರೆಯು ನಿಮಗೋಸ್ಕರ ಸುರಿಸಲ್ಪಡುವ ನನ್ನ ರಕ್ತದಿಂದ ಸ್ಥಾಪಿತವಾಗುವ ಹೊಸ
ಒಡಂಬಡಿಕೆಯನ್ನು ಸೂಚಿಸುತ್ತದೆ. ೨೧ ಆದರೂ ನೋಡಿರಿ, ನನ್ನನ್ನು ಹಿಡುಕೊಡುವವನು
ನನ್ನೊಡನೆ ಮೇಜಿನ ಮೇಲೆ ಕೈಯಿಟ್ಟು ಊಟಮಾಡುತ್ತಿದ್ದಾನೆ. ೨೨ ಮನುಷ್ಯಕುಮಾರನು
ನೇಮಕವಾದ ಪ್ರಕಾರ ಹೊರಟುಹೋಗುತ್ತಾನೆ ಸರಿ; ಆದರೆ ಆತನನ್ನು ಹಿಡುಕೊಡುವ
ಮನುಷ್ಯನ ಗತಿಯನ್ನು ಏನು ಹೇಳಲಿ ಅಂದನು. ೨೩ ಇದನ್ನು ಕೇಳಿ ಅವರು—ಇಂಥ ಕೆಲಸವನ್ನು
ಮಾಡ ಬೇಕೆಂದಿರುವವನು ನಮ್ಮಲ್ಲಿ ಯಾವನಾಗಿರಬಹುದು ಎಂದು ಒಬ್ಬರನ್ನೊಬ್ಬರು ಕೇಳ
ತೊಡಗಿದರು.

೨೪ ಇದಲ್ಲದೆ ತಮ್ಮಲ್ಲಿ ಯಾವನು ಹೆಚ್ಚಿನವನೆನಿಸಿಕೊಳ್ಳುವವನು ಎಂಬ ವಿಷಯದಲ್ಲಿ
ಅವರೊಳಗೆ ಚರ್ಚೆ ಹುಟ್ಟಿತು. ೨೫ ಆಗ ಆತನು ಅವರಿಗೆ—ಅನ್ಯದೇಶದ ಅರಸರು ತಮ್ಮ ತಮ್ಮ
ಜನಗಳ ಮೇಲೆ ದೊರೆತನಮಾಡುತ್ತಾರೆ, ಮತ್ತು ಅವರ ಮೇಲೆ ಅಧಿಕಾರ ನಡಿಸುವವರು
ಧರ್ಮಿಷ್ಠರೆನಿಸಿಕೊಳ್ಳುತ್ತಾರೆ. ೨೬ ನೀವು ಹಾಗಿರಬಾರದು; ನಿಮ್ಮಲ್ಲಿ ಹೆಚ್ಚಿನವನು
ಚಿಕ್ಕವನಂತಾಗಬೇಕು, ಮುಖ್ಯಸ್ಥನು ಸೇವಕನಂತಾಗಬೇಕು. ೨೭ ಯಾವನು ಹೆಚ್ಚಿನವನು? ಊಟಕ್ಕೆ
ಕೂತವನೋ ಸೇವೆಮಾಡುವವನೋ? ಊಟಕ್ಕೆ ಕೂತವನಲ್ಲವೇ. ಆದರೆ ನಾನು ನಿಮ್ಮಲ್ಲಿ
ಸೇವೆ ಮಾಡುವವನಂತಿದ್ದೇನೆ. ೨೮ ನೀವು ನನ್ನ ಕಷ್ಟಗಳಲ್ಲಿ ನನ್ನ ಸಂಗಡ ಎಡೆಬಿಡದೆ ಇದ್ದವರು.
೨೯ ಆದದರಿಂದ ನನ್ನ ತಂದೆಯು ನನಗೆ ರಾಜ್ಯವನ್ನು ನೇಮಿಸಿದ ಪ್ರಕಾರ ನಾನು ನಿಮಗೂ
ನೇಮಿಸುತ್ತೇನೆ; ೩೦ ನನ್ನ ರಾಜ್ಯದಲ್ಲಿ ನೀವು ನನ್ನ ಮೇಜಿನ ಮೇಲೆ ಊಟಮಾಡುವಿರಿ,
ಕುಡಿಯುವಿರಿ; ಮತ್ತು ಸಿಂಹಾಸನಗಳ ಮೇಲೆ ಕೂತುಕೊಂಡು ಇಸ್ರಾಯೇಲಿನ ಹನ್ನೆರಡು
ಕುಲಗಳಿಗೆ ನ್ಯಾಯತೀರಿಸುವಿರಿ. ೩೧ ಸೀಮೋನನೇ, ಸೀಮೋನನೇ, ನೋಡು, ಸೈತಾನನು
ನಿಮ್ಮನ್ನು ಗೋದಿಯಂತೆ ಒನೆಯಬೇಕೆಂದು ಅಪ್ಪಣೆ ಕೇಳಿಕೊಂಡನು; ೩೨ ಆದರೆ ನಿನ್ನ
ನಂಬಿಕೆ ಕುಂದಿಹೋಗಬಾರದೆಂದು ನಾನು ನಿನ್ನ ವಿಷಯದಲ್ಲಿ ದೇವರಿಗೆ ವಿಜ್ಞಾಪನೆಮಾಡಿ
ಕೊಂಡೆನು. ನೀನು ತಿರುಗಿಕೊಂಡ ಮೇಲೆ ನಿನ್ನ ಸಹೋದರರನ್ನು ದೃಢಪಡಿಸು ಎಂದು
ಹೇಳಿದನು. ೩೩ ಅದರೆ ಅವನು—ಸ್ವಾಮೀ, ನಿನ್ನ ಸಂಗಡ ಸೆರೆಮನೆಗೆ ಹೋಗುವದಕ್ಕೂ
ಸಾಯುವದಕ್ಕೂ ಸಿದ್ಧವಾಗಿದ್ದೇನೆ ಅನ್ನಲು ಆತನು—ಪೇತ್ರನೇ, ೩೪ ನನ್ನ ವಿಷಯದಲ್ಲಿ—ಇವನನ್ನು
ಅರಿಯೆನೆಂದು ನೀನು ಮೂರು ಸಾರೆ ಹೇಳುವ ತನಕ ಈಹೊತ್ತು ಕೋಳಿ ಕೂಗುವದಿಲ್ಲವೆಂದು
ನಿನಗೆ ಹೇಳುತ್ತೇನೆ ಅಂದನು.
೩೫ ಮತ್ತು ಆತನು—ನಿಮ್ಮನ್ನು ನಾನು ಹಮ್ಮಿಣಿ ಹಸಿಬೆ ಜೋಡುಗಳಿಲ್ಲದೆ ಕಳುಹಿಸಿದಾಗ
ನಿಮಗೆ ಏನಾದರೂ ಕೊರತೆಯಾಯಿತೋ ಎಂದು ಕೇಳಲು ಅವರು ಏನೂ ಇಲ್ಲವೆಂದು
ಉತ್ತರಕೊಟ್ಟರು. ೩೬ ಅದಕ್ಕೆ ಆತನು—ಈಗಲಾದರೋ ಹಮ್ಮಿಣಿಯಿದ್ದವನು ಅದನ್ನು ತಕ್ಕೊಳ್ಳಲಿ,
ಹಸಿಬೆಯಿದ್ದವನು ಅದನ್ನು ತಕ್ಕೊಳ್ಳಲಿ, ಮತ್ತು ಕತ್ತಿಯಿಲ್ಲದವನು ತನ್ನ ಮೇಲಂಗಿಯನ್ನು
ಮಾರಿ ಒಂದು ಕತ್ತಿಯನ್ನು ಕೊಂಡುಕೊಳ್ಳಲಿ. ೩೭ ಯಾಕಂದರೆ—ಆತನು ಅಪರಾಧಿಗಳಲ್ಲಿ
ಒಬ್ಬನಂತೆ ಎಣಿಸಲ್ಪಟ್ಟನು ಎಂದು ಬರೆದಿರುವ ಮಾತು ನನ್ನಲ್ಲಿ ನೆರವೇರಬೇಕಾಗಿದೆ ಎಂದು
ನಿಮಗೆ ಹೇಳುತ್ತೇನೆ; ನನ್ನ ವಿಷಯವಾದದ್ದು ಕೊನೆಗಾಣಬೇಕು ಎಂದು ಹೇಳಿದನು.
೩೮ ಅವರು—ಸ್ವಾಮೀ, ಇಗೋ ಇಲ್ಲಿ ಎರಡು ಕತ್ತಿಗಳಿವೆ ಅನ್ನಲು ಆತನು ಅವರಿಗೆ—ಅಷ್ಟು ಸಕು
ಅಂದನು.

### ಯೇಸು ಗೆತ್ಸೇಮನೆತೋಟಕ್ಕೆ ಹೋಗಿ ಪ್ರಾರ್ಥಿಸಿದ್ದು; ಯೂದನು ಆತನನ್ನು ಶತ್ರುಗಳಿಗೆ ಹಿಡುಕೊಟ್ಟಿದ್ದು.

(ಮತ್ತಾ. ೨೬.೩೬-೫೬; ಮಾರ್ಕ ೧೪.೩೨-೫೦; ಯೋಹಾ. ೧೮.೧-೧೧)

೩೯ ತರುವಾಯ ಆತನು ಹೊರಟು ಪದ್ಧತಿಪ್ರಕಾರ ಎಣ್ಣೇಮರಗಳ ಗುಡ್ಡಕ್ಕೆ ಹೋದನು.
ಶಿಷ್ಯರೂ ಆತನ ಹಿಂದೆ ಹೋದರು. ೪೦ ಆತನು ಕ್ಲುಪ್ತಸ್ಥಳಕ್ಕೆ ಬಂದಾಗ ಅವರಿಗೆ—ನೀವು
ಶೋಧನೆಗೆ ಒಳಗಾಗದಂತೆ ದೇವರನ್ನು ಪ್ರಾರ್ಥಿಸಿರಿ ಎಂದು ಹೇಳಿದನು. ೪೧ ಆ ಮೇಲೆ
ಆತನು ಅವರನ್ನು ಬಿಟ್ಟು ಕಲ್ಲೆಸುಗೆಯಷ್ಟು ದೂರ ಹೋಗಿ ಮೊಣಕಾಲೂರಿ—ತಂದೆಯೇ,
೪೨ ನಿನಗೆ ಇಷ್ಟವಿದ್ದರೆ ಈ ಪಾತ್ರೆಯನ್ನು ನನ್ನಿಂದ ತೊಲಗಿಸು; ಹೇಗೂ ನನ್ನ ಚಿತ್ತವಲ್ಲ, ನಿನ್ನ
ಚಿತ್ತವೇ ಆಗಲಿ ಅಂದನು. ೪೩ ಆಗ ಪರಲೋಕದಿಂದ ಬಂದ ಒಬ್ಬ ದೇವದೂತನು ಆತನಿಗೆ
ಕಾಣಿಸಿಕೊಂಡು ಆತನನ್ನು ಬಲಪಡಿಸಿದನು. ೪೪ ಆತನು ಮನೋವ್ಯಥೆಯುಳ್ಳವನಾಗಿ
ಇನ್ನೂ ಆಸಕ್ತಿಯಿಂದ ಪ್ರಾರ್ಥಿಸುತ್ತಿರಲಾಗಿ ಆತನ ಬೆವರು ಭೂಮಿಗೆ ಬೀಳುತ್ತಿರುವ ರಕ್ತದ
ದೊಡ್ಡ ಹನಿಗಳೋಪಾದಿಯಲ್ಲಿತ್ತು. ೪೫ ಆತನು ಪ್ರಾರ್ಥನೆ ಮುಗಿಸಿ ಎದ್ದು ಶಿಷ್ಯರ ಬಳಿಗೆ
ಬಂದು ದುಃಖಭಾರದಿಂದ ಇವರಿಗೆ ನಿದ್ರೆಹತ್ತಿರುವದನ್ನು ಕಂಡು ಅವರಿಗೆ— ೪೬ ನೀವು
ನಿದ್ರೆಮಾಡುವದೇನು? ಏಳಿರಿ, ಶೋಧನೆಗೆ ಒಳಗಾಗದಂತೆ ಪ್ರಾರ್ಥಿಸಿರಿ ಎಂದು ಹೇಳಿದನು.
೪೭ ಆತನು ಇನ್ನೂ ಮಾತಾಡುತ್ತಿರಲು ಇಗೋ, ಜನರ ಗುಂಪು ಕಾಣಿಸಿತು. ಹನ್ನೆರಡು ಮಂದಿ
ಶಿಷ್ಯರಲ್ಲಿ ಒಬ್ಬನಾದ ಯೂದನೆಂಬವನು ಆ ಜನರ ಮುಂದೆ ಮುಂದೆ ನಡೆದನು. ೪೮ ಅವನು
ಯೇಸುವಿನಗೆ ಮುದ್ದಿಡುವದಕ್ಕಾಗಿ ಆತನ ಬಳಿಗೆ ಬರಲು ಯೇಸು ಅವನಿಗೆ—ಯೂದನೇ,
ಮುದ್ದಿಟ್ಟು ಮನುಷ್ಯಕುಮಾರನನ್ನು ಹಿಡುಕೊಡುತ್ತೀಯಾ ಎಂದು ಕೇಳಿದನು. ೪೯ ಆತನ

ಸುತ್ತಲಿದ್ದವರು ಮುಂದೆ ಆಗುವದನ್ನು ತಿಳಿದು—ಸ್ವಾಮೀ, ನಾವು ಕತ್ತಿಯಿಂದ ಹೊಡೆಯಬೋಣವೋ
ಎಂದು ಕೇಳಿದರು. ೫೦ ಅವರಲ್ಲಿ ಒಬ್ಬನು ಮಹಾಯಾಜಕನ ಆಳನ್ನು ಹೊಡೆದು ಅವನ
ಬಲಗಿವಿಯನ್ನು ಕಡಿದುಹಾಕಿದನು. ೫೧ ಆದರೆ ಯೇಸು—ಇಷ್ಟಕ್ಕೇ ಬಿಡಿರಿ ಎಂದು
ಹೇಳಿ ಆ ಕಿವಿಯನ್ನು ಮುಟ್ಟಿ ಅವನಿಗೆ ವಾಸಿಮಾಡಿದನು. ೫೨ ಬಳಿಕ ಯೇಸು ತನ್ನನ್ನು
ಹಿಡಿಯುವದಕ್ಕೆ ಬಂದ ಮಹಾಯಾಜಕರಿಗೂ ದೇವಾಲಯದ ಕಾವಲಿನ ದಳವಾಯಿಗಳಿಗೂ
ಸಭೆಯ ಹಿರಿಯರಿಗೂ-ಕಳ್ಳನನ್ನು ಹಿಡಿಯುವದಕ್ಕೆ ಬಂದಂತೆ ಕತ್ತಿಗಳನ್ನೂ ದೊಣ್ಣೆಗಳನ್ನೂ
ತೆಗೆದುಕೊಂಡು ಬಂದಿರಾ? ೫೩ ನಾನು ದಿನಾಲು ದೇವಾಲಯದಲ್ಲಿ ನಿಮ್ಮ ಸಂಗಡ ಇದ್ದಾಗ ನೀವು
ನನ್ನ ಮೇಲೆ ಕೈಹಾಕಲಿಲ್ಲ; ಆದರೆ ಇದು ನಿಮ್ಮ ಕಾಲ, ಇದು ಅಂಧಕಾರದ ದೊರೆತನ ಎಂದು
ಹೇಳಿದನು.

ಪೇತ್ರನು ಯೇಸುವನ್ನು ನಾನರಿಯೆನೆಂದು ಹೇಳಿದ್ದು;
ಹಿರೀಸಭೆಯವರು ಯೇಸುವನ್ನು ಮರಣದಂಡನೆಗೆ ತಕ್ಕವನೆಂದು
ತೀರ್ಪು ಮಾಡಿ ಅಧಿಪತಿಯ ಬಳಿಗೆ ತೆಗೆದುಕೊಂಡುಹೋದದ್ದು.

(ಮತ್ತಾ. ೨೬.೫೭-೭೫; ಮಾರ್ಕ ೧೪.೫೩-೭೨; ಯೋಹಾ. ೧೮:೧೨-೨೭)

೫೪ ಅವರು ಆತನನ್ನು ಹಿಡಿದು ಸಾಗಿಸಿಕೊಂಡು ಮಹಾ ಯಾಜಕನ ಮನೆಯೊಳಕ್ಕೆ
ತೆಗೆದುಕೊಂಡು ಹೋದರು; ಪೇತ್ರನು ದೂರದಿಂದ ಹಿಂದೆಹಿಂದೆ ಹೋಗುತ್ತಿದ್ದನು. ೫೫ ಅಂಗಳದ
ನಡುವೆ ಅವರು ಬೆಂಕಿ ಹೊತ್ತಿಸಿ ಒಟ್ಟಾಗಿ ಕೂತುಕೊಳ್ಳಲು ಅವರ ನಡುವೆ ಪೇತ್ರನೂ
ಕೂತುಕೊಂಡನು. ೫೬ ಅವನು ಬೆಳಕಿಗೆ ಮುಖವಾಗಿ ಕೂತಿರುವಾಗ ಒಬ್ಬ ದಾಸಿಯು ಅವನನ್ನು
ಕಂಡು ಅವನನ್ನು ದೃಷ್ಟಿಸಿ ನೋಡಿ—ಇವನು ಸಹ ಅವನ ಸಂಗಡ ಇದ್ದವನು ಅಂದಳು. ೫೭ ಆದರೆ
ಅವನು—ನಾನು ಅವನನ್ನು ಅರಿಯೆನಮ್ಮಾ ಎಂದು ಹೇಳಿದನು. ೫೮ ತುಸಹೊತ್ತಿನ ಮೇಲೆ
ಒಬ್ಬನು ಅವನನ್ನು ಕಂಡು—ನೀನು ಸಹ ಅವರಲ್ಲಿ ಒಬ್ಬನು ಅನ್ನಲು ಪೇತ್ರನು-ಅಲ್ಲಪ್ಪಾ ಅಂದನು.
೫೯ ಹೆಚ್ಚು ಕಡಿಮೆ ಒಂದು ಘಂಟೆ ಹೊತ್ತಿನಮೇಲೆ ಇನ್ನೊಬ್ಬನು—ನಿಶ್ಚಯವಾಗಿ ಇವನು
ಸಹ ಅವನ ಸಂಗಡ ಇದ್ದವನು, ಇವನು ಗಲಿಲಾಯದವನಷ್ಟೆ ಎಂದು ದೃಢವಾಗಿ ಹೇಳಿದನು.
೬೦ ಆದರೆ ಪೇತ್ರನು—ನೀನು ಹೇಳುವದೇನೋ ನಾನರಿಯೆನಪ್ಪಾ ಅಂದನು.ಅವನು ಈ ಮಾತನ್ನು
ಆಡುತ್ತಿರುವಾಗಲೇ ಕೋಳಿ ಕೂಗಿತು. ೬೧ ಸ್ವಾಮಿಯು ಹಿಂತಿರುಗಿಕೊಂಡು ಪೇತ್ರನನ್ನು ದೃಷ್ಟಿಸಿ
ನೋಡಿದನು. ಆಗ ಪೇತ್ರನು—ಈಹೊತ್ತು ಕೋಳಿ ಕೂಗುವದಕ್ಕಿಂತ ಮುಂಚೆ ಮೂರು ಸಾರಿ ನನ್ನ
ವಿಷಯವಾಗಿ ಅವನನ್ನು ಅರಿಯೆ ನೆಂಬದಾಗಿ ಹೇಳುವಿ ಎಂದು ಸ್ವಾಮಿ ನುಡಿದ ಮಾತನ್ನು
ನೆನಸಿ ೬೨ ಹೊರಗೆ ಹೋಗಿ ಬಹು ವ್ಯಥೆಪಟ್ಟು ಅತ್ತನು.
೬೩ ಆ ಮೇಲೆ ಯೇಸುವನ್ನು ಹಿಡಿದವರು ಆತನನ್ನು ಹಾಸ್ಯಮಾಡುತ್ತಾ ೬೪ ಆತನಿಗೆ
ಮುಸುಕುಹಾಕಿ ಹೊಡೆದು—ನಿನ್ನನ್ನು ಹೊಡೆದವನಾರು? ಪ್ರವಾದನೆ ಹೇಳು ಎಂದು ಆತನನ್ನು
ಕೇಳಿದರು. ೬೫ ಆತನಿಗೆ ಇನ್ನೂ ಅನೇಕ ದೂಷಣೆಯ ಮಾತುಗಳನ್ನಾಡಿದರು.
೬೬ ಬೆಳಗಾಗುವಾಗ ಯೆಹೂದ್ಯರ ಹಿರೀಸಭೆಯವರು ಅಂದರೆ ಮಹಾಯಾಜಕರೂ ಶಾಸ್ತ್ರಿಗಳೂ
ಕೂಡಿ ಆತನನ್ನು ತಮ್ಮ ನ್ಯಾಯವಿಚಾರಣಾಸಭೆಗೆ ತೆಗೆದುಕೊಂಡು ಬಂದು— ೬೭ ನೀನು
ಕ್ರಿಸ್ತನಾಗಿದ್ದರೆ ನಮಗೆ ಹೇಳು ಅಂದರು. ಆತನು ಅವರಿಗೆ—ನಾನು ನಿಮಗೆ ಹೇಳಿದರೆ ನೀವು
ನಂಬುವದಿಲ್ಲ, ೬೮ ನಾನು ನಿಮ್ಮನ್ನು ಏನಾದರೂ ಕೇಳಿದರೆ ನೀವು ಉತ್ತರಕೊಡುವದಿಲ್ಲ. ೬೯ ಆದರೆ
ಇಂದಿನಿಂದ ಮನುಷ್ಯಕುಮಾರನು ಸರ್ವಶಕ್ತನಾದ ದೇವರ ಬಲಗಡೆಯಲ್ಲಿ ಆಸೀನನಾಗಿರುವನು
ಎಂದು ಹೇಳಿದನು. ೭೦ ಆಗ ಎಲ್ಲರು—ಹಾಗಾದರೆ ನೀನು ದೇವರ ಕುಮಾರನೋ ಎಂದು ಕೇಳಲು
ಆತನು ಅವರಿಗೆ—ನನ್ನನ್ನು ಅವನೇ ಎಂದು ನೀವೇ ಹೇಳುತ್ತೀರಿ ಎಂದು ಹೇಳಿದನು. ೭೧ ಅದಕ್ಕೆ
ಅವರು—ನಮಗೆ ಸಾಕ್ಷಿ ಇನ್ನುಯಾತಕ್ಕೆ ಬೇಕು? ನಾವೇ ಇವನ ಬಾಯಿಂದ ಕೇಳಿದೆವಲ್ಲಾ
ಅಂದರು.

ಪಿಲಾತನು ಯೇಸುವನ್ನು ವಿಚಾರಿಸಿ ಆತನಲ್ಲಿ ಅಪರಾಧವಿಲ್ಲವೆಂದು
ಕಂಡರೂ ಆತವಿಗೆ ಮರಣದಂಡನೆಯನ್ನಯ ವಿಧಿಸಿದ್ದು.

(ಮತ್ತಾ ೨೭. ೨ ೧೧ –೩೧, ಮಾರ್ಕ ೧೫. ೧-೨೦, ಯೋಹ ೧೮. ೨೮-೧೯.೧೬)

೨೩ ೧ ಅಲ್ಲಿ ಕೂಡಿದ್ದವರೆಲ್ಲರೂ ಎದ್ದು ಆತನನ್ನು ಪಿಲಾತನ ಬಳಿಗೆ ತೆಗೆದುಕೊಂಡು ಹೋಗಿ
– ೨ ಇವನು ತಾನೇ ಕ್ರಿಸ್ತನೆಂಬ ಒಬ್ಬ ಅರಸನಾಗಿದ್ದೇನೆಂದು ಹೇಳುತ್ತಾ ಕೈಸರನಿಗೆ

ತೆರಿಗೆಕೊಡಬಾರದೆಂದು ಬೋಧಿಸುತ್ತಾ ನಮ್ಮ ದೇಶದವರ ಮನಸ್ಸು ಕೆಡಿಸುವದನ್ನು ನಾವು
ಕಂಡೆವು ಎಂಬದಾಗಿ ಆತವ ಮೇಲೆ ದೂರು ಹೇಳುವದಕ್ಕೆ ತೊಡಗಿದರು. ೩ ಪಿಲಾತನು ಆತನನ್ನು
ನೀನು ಯೆಹೂದ್ಯರ ಅರಸನು ಹೌದೋ ಎಂದು ಕೇಳಲು, ಆತನು – ನೀನೇ ಹೇಳಿದ್ದೀ ಎಂದು
ಉತ್ತರ ಕೊಟ್ಟನು. ೪ ಪಿಲಾತನು ಮಹಾಯಾಜಕರಿಗೂ ಜನರ ಗುಂಪಿಗೂ - ಈ ಮನುಷ್ಯನಲ್ಲಿ ನನಗೆ
ಯಾವ ಅಪರಾಧವೂ ಕಾಣಿಸುವದಿಲ್ಲವೆಂದು ಹೇಳಿದನು. ೫ ಅದಕ್ಕೆ ಅವರು – ಗಲಿಲಾಯದಲ್ಲಿ
ಪ್ರಾರಂಭಮಾಡಿ ಇಲ್ಲಿಯವರೆಗೂ ಯೂದಾಯ ಸೀಮೆಯಲ್ಲೆಲ್ಲಾ ಇವನು ಭೋಧನೆ ಮಾಡುತ್ತಾ
ಜನರ ಮನಸ್ಸನ್ನು ಕದಲಿಸುತ್ತಾನೆ ಎಂದು ಇನ್ನೂ ಒತ್ತಿ ಹೇಳಿದರು. ೬ ಇದನ್ನು ಪಿಲಾತನು
ಕೇಳಿ – ಈ ಮನುಷ್ಯನು ಗಲಿಲಾಯದವನೋ ಎಂದು ವಿಚಾರಿಸಿ. ೭ ಇವನು ಹೆರೋದನ
ಅಧಿಕಾರಕ್ಕೆ ಒಳಪಟ್ಟವನು ಎಂದು ತಿಳುಕೊಂಡು ಆತನನ್ನು ಹೆರೋದನ ಬಳಿಗೆ ಕಳುಹಿಸಿದನು.
ಹೆರೋದನು ಆ ದಿವಸಗಳಲ್ಲಿ ಯೆರೂಸಲೇಮಿನಲ್ಲೇ ಇದ್ದನು. ೮ ಹೆರೋದನು ಯೇಸುವನ್ನು
ನೋಡಿದಾಗ ಬಹಳ ಸಂತೋಷಪಟ್ಟನು. ಯಾಕಂದರೆ ಆತನ ವಿಷಯವಾಗಿ ಅನೇಕ ಸಂಗತಿಗಳನ್ನು
ಕೇಳಿದ್ದರಿಂದ ಆತನನ್ನು ಕಾಣಬೇಕೆಂದು ಬಹು ಕಾಲದಿಂದ ಅಪೇಕ್ಷಿಸಿದ್ದನು. ಆತನಿಂದ
ಯಾವದಾದರೂ ಒಂದು ಸೂಚಕ ಕಾರ್ಯವಾಗುವದನ್ನು ನೋಡಬೇಕೆಂದು ನಿರೀಕ್ಷಿಸಿದನು.
೯ ಆದರೆ ಅವನು ಅನೇಕ ಮಾತುಗಳಿಂದ ಆತನನ್ನು ಪ್ರಶ್ನೆ ಮಾಡಿದಾಗ್ಯೂ ಆತನು ಅವನಿಗೆ
ಏನೂ ಉತ್ತರ ಕೊಡಲಿಲ್ಲ. ೧೦ ಮಹಾಯಾಜಕರೂ ಶಾಸ್ತ್ರಿಗಳೂ ನಿಂತುಕೊಂಡು ಆತನ ಮೇಲೆ
ಬಹು ಬಲವಾಗಿ ದೂರು ಹೇಳುತ್ತಿದ್ದರು. ೧೧ ಕಡೆಗೆ ಹೆರೋದನು ತನ್ನ ಸಿಪಾಯಿಗಳನ್ನು
ಕೂಡಿಕೊಂಡು ಆತನನ್ನು ತಿರಸ್ಕರಿಸಿ ಹಾಸ್ಯ ಮಾಡಿ ಶೋಭಾಯಮಾನವಾದ ಉಡುಪನ್ನು ಹಾಕಿಸಿ
ಪಿಲಾತನ ಬಳಿಗೆ ತಿರಿಗಿ ಕಳುಹಿಸಿಕೊಟ್ಟನು. ೧೨ ಅದೇ ದಿನದಲ್ಲಿ ಹೆರೋದನು ಪಿಲಾತನೂ
ಒಬ್ಬರಿಗೊಬ್ಬರು ಸ್ನೇಹಿತರಾದರು. ಅದಕ್ಕಿಂತ ಮೊದಲು ವೈರಿಗಳಾಗಿದ್ದರು. ೧೩ ತರುವಾಯ
ಪಿಲಾತನು ಮಹಾಯಾಜಕರನ್ನೂ ಅಧಿಕಾರಿಗಳನ್ನೂ ಪ್ರಜೆಗಳನ್ನೂ ಒಟ್ಟಾಗಿ ಕರಸಿ ಅವರಿಗೆ –
೧೪ ಈ ಮನುಷ್ಯನು ಪ್ರಜೆಗಳನ್ನು ತಿರಿಗಿಬೀಳುವಂತೆ ಮಾಡುವವನು ಎಂದು ಇವನನ್ನು ನನ್ನ ಬಳಿಗೆ
ತಂದಿರಲ್ಲಾ . ನೀವು ಇವನ ಮೇಲೆ ತಂದ ದೂರುಗಳವಿಷಯವಾಗಿ ನಾನು ನಿಮ್ಮ ಮುಂದೆಯೇ
ವಿಚಾರಣೆ ಮಾಡಿದರೂ ಇವನಲ್ಲಿ ಒಂದು ತಪ್ಪಾದರೂ ನನಗೆ ಕಾಣಲಿಲ್ಲ. ೧೫ ಅವನು ಇವನನ್ನು
ಹಿಂತಿರುಗಿ ನಮ್ಮ ಬಳಿಗೆ ಕಳುಹಿಸಿದನಲ್ಲಾ. ಇವನು ಮರಣದಂಡನೆಗೆ ಯೋಗ್ಯವಾದದ್ದೇನೂ
ಮಾಡಿದವನಲ್ಲವೆಂದಾಯಿತು. ೧೬ ಆದದರಿಂದ ನಾನು ಇವನನ್ನು ಹೊಡಿಸಿ ಬಿಟ್ಟು ಬಿಡುತ್ತೇನೆ
ಎಂದು ಹೇಳಿದನು. ೧೭ ಆದರೆ ಅವರು – ಅವನನ್ನು ಕೊಲ್ಲಿಸು ೧೮ ನಮಗೆ ಬರಬ್ಬನನ್ನು ಬಿಟ್ಟುಕೊಡು
ಎಂದು ಒಟ್ಟಾಗಿ ಕೂಗಿದರು. ೧೯ ಈ ಬರಬ್ಬನನ್ನು ಆ ಪಟ್ಟಣದಲ್ಲಿ ನಡೆದ ಒಂದಾನೊಂದು
ದಂಗೆಯ ನಿಮಿತ್ತವಾಗಿಯೂ ಕೊಲೆಯ ನಿಮಿತ್ತವಾಗಿಯೂ ಸೆರೆಮನೆಯಲ್ಲಿ ಹಾಕಿದ್ದರು.
೨೦ ಪಿಲಾತನು ಯೇಸುವನ್ನು ಬಿಡಿಸಬೇಕೆಂದು ಮನಸ್ಸುಳ್ಳವನಾಗಿದ್ದು ತಿರಿಗಿ ಅವರ ಸಂಗಡ
ಮಾತಾಡಿದನು. ೨೧ ಆದರೆ ಅವರು – ಅವನನ್ನು ಶಿಲುಬೆಗೆ ಹಾಕಿಸು. ಶಿಲುಬೆಗೆ ಹಾಕಿಸು.
ಎಂದು ಕೂಗುತ್ತಿದ್ದರು. ೨೨ ಅವನು ಮೂರನೆಯ ಸಾರಿ - ಯಾಕೆ? ಕೆಟ್ಟದ್ದೇನು ಮಾಡಿದನು? ನಾನು
ಇವನಲ್ಲಿ ಮರಣದಂಡನೆಗೆ ತಕ್ಕ ಅಪರಾಧವೇನೂ ಕಾಣಲಿಲ್ಲ ಆದದರಿಂದ ಇವನನ್ನು ಹೊಡಿಸಿ
ಬಿಟ್ಟುಬಿಡುತ್ತೇನೆ ಎಂದು ಅವರಿಗೆ ಹೇಳಿದನು. ೨೩ ಆದರೆ ಅವರು ದೊಡ್ಡ ಕೂಗಾಟ ಮಾಡುತ್ತಾ
- ಅವನನ್ನು ಶಿಲುಬೆಗೆ ಹಾಕಿಸಬೇಕೆಂದು ಕೇಳಿಕೊಂಡು ಬಲವಂತ ಮಾಡಿದರು. ಅವರ
ಕೂಗಾಟವು ಗೆದ್ದಿತು. ೨೪ ಪಿಲಾತವು – ನೀವು ಕೇಳಿಕೊಂಡಂತೆ ಆಗಲಿ ಎಂದು ನಿರ್ಣಯಿಸಿ,
೨೫ ದಂಗೆ ಕೊಲೆಗಳ ನಿಮಿತ್ತವಾಗಿ ಸೆರೆಮವೆಯಲ್ಲಿ ಬಿದ್ದ ಆ ಮನುಷ್ಯನನ್ನು ಅವರು
ಕೇಳಿಕೊಳ್ಳುತ್ತಿದ್ದ ಪ್ರಕಾರ ಬಿಟ್ಟುಕೊಟ್ಟು ಯೇಸುವನ್ನು ಅವರ ಚಿತ್ತಾನುಸಾರ ಒಪ್ಪಿಸಿದನು.

## ಯೇಸುವನ್ನು ಶಿಲುಬೆಗೆ ಹಾಕಿದ್ದು ; ಆತನು ಪ್ರಾಣಬಿಟ್ಟದ್ದು.

(ಮತ್ತಾ ೨೭. ೩೨- ೫೬ ; ಮಾರ್ಕ ೧೫. ೨೧- ೪೧; ಯೋಹಾ ೧೯. ೧೭-೩೦ )

೨೬ ಅವರು ಆತನನ್ನು ತೆಗೆದುಕೊಂಡು ಹೋಗುತ್ತಿರುವಾಗ ಹೊಲದಿಂದ ಬರುತ್ತಿದ್ದ
ಕುರೇನೆಪಟ್ಟಣದ ಸೀಮೋನನೆಂಬವನನ್ನು ಹಿಡಿದು ಶಿಲುಬೆಯನ್ನು ಅವನ ಮೇಲೆ ಇಟ್ಟು
ಯೇಸುವಿನ ಹಿಂದೆ ಹೊತ್ತುಕೊಂಡು ಬರುವ ಹಾಗೆ ಮಾಡಿದರು. ೨೭ ಜನರೂ ಸ್ತ್ರೀಯರೂ ದೊಡ್ಡ
ಗುಂಪಾಗಿ ಆತನ ಹಿಂದೆ ಬಂದರು. ಆ ಸ್ತ್ರೀಯರು ಎದೆಬಡುಕೊಳ್ಳುತ್ತಾ ಆತವ ವಿಷಯದಲ್ಲಿ
ಗೋಳಾಡುತ್ತಾ ಇದ್ದರು. ೨೮ ಯೇಸು ಅವರ ಕಡೆಗೆ ತಿರುಗಿಕೊಂಡು ಯೆರುಸಲೇಮಿನ
ಸ್ತ್ರೀಯರೇ ನನಗೋಸ್ಕರ ಅಳಬೇಡಿರಿನಿಮಗೋಸ್ಕರವೂ ನಿಮ್ಮ ಮಕ್ಕಳಿಗೋಸ್ಕರವೂ ಅಳಿರಿ.

೨೯ ಯಾಕಂದರೆ ಬಂಜೆಯರೂ ಬಸುರಾಗದವರೂ ಮೊಲೆಕುಡಿಸದವರೂ ಧನ್ಯರು ಎಂದು
ಜನರು ಹೇಳುವ ದಿವಸಗಳು ಬರುತ್ತವೆ. ೩೦ ಆ ಕಾಲದಲ್ಲಿ ಜನರು - ಬೆಟ್ಟಗಳೇ ನಮ್ಮ ಮೇಲೆ
ಬೀಳಿರಿ. ಗುಡ್ಡಗಳೇ ನಮ್ಮನ್ನು ಮುಚ್ಚಿಕೊಳ್ಳಿರಿ ಅನ್ನುವರು. ೩೧ ಮರ ಹಸಿಯಾಗಿರುವಾಗ ಇಷ್ಟೆಲ್ಲಾ
ಮಾಡಿದರೆ ಮರ ಒಣಗಿರುವಾಗ ಏನಾಗಬಹುದು? ಅಂದನು. ೩೨ ಆತನ ಸಂಗಡ ಕೊಲ್ಲುವದಕ್ಕಾಗಿ
ದುಷ್ಕರ್ಮಿಗಳಾಗಿದ್ದ ಬೇರೆ ಇಬ್ಬರನ್ನೂ ತೆಗೆದುಕೊಂಡು ಹೋದರು. ೩೩ ಅವರು ಕಪಾಲವೆಂಬ
ಸ್ಥಳಕ್ಕೆ ಬಂದಾಗ ಅಲ್ಲಿ ಆತನನ್ನು ದುಷ್ಕರ್ಮಿಗಳನ್ನು ಶಿಲುಬೆಗೆ ಹಾಕಿದರು. ಒಬ್ಬನನ್ನು ಆತನ
ಬಲಗಡೆಯಲ್ಲಿ ಒಬ್ಬನನ್ನು ಆತನ ಎಡಗಡೆಯಲ್ಲಿ ಹಾಕಿದರು. ೩೪ ಆಗ ಯೇಸು ತಂದೆಯೇ
ಅವರಿಗೆ ಕ್ಷಮಿಸು ತಾವು ಏನು ಮಾಡುತ್ತೇವೆಂಬದನ್ನು ಅರಿಯರು ಅಂದನು. ಆ ಮೇಲೆ ಆತನ
ಬಟ್ಟೆಗಳನ್ನು ಪಾಲು ಮಾಡಿ ಚೀಟು ಹಾಕಿದರು. ೩೫ ಜನರು ನೋಡುತ್ತಾ ನಿಂತರು. ಇದಲ್ಲದೆ
ಅಧಿಕಾರಿಗಳು ಹಾಸ್ಯಮಾಡಿ, ಅವನು ಮತ್ತೊಬ್ಬರನ್ನು ರಕ್ಷಿಸಿದನು. ಅವನು ದೇವರಾರಿಸಿಕೊಂಡ
ಕ್ರಿಸ್ತನು ಆಗಿದ್ದರೆ ತನ್ನನ್ನು ತಾನೇ ರಕ್ಷಿಸಿಕೊಳ್ಳಲಿ ಅಂದರು. ೩೬ ಸಿಪಾಯಿಗಳೂ ಆತನನ್ನು
ಹಾಸ್ಯ ಮಾಡಿದರು. ಅವರು ಆತನ ಹತ್ತಿರ ಬಂದು ಹುಳಿಮದ್ಯವನ್ನು ತೋರಿಸಿ- ೩೭ ನೀನು
ಯೆಹೂದ್ಯರ ಅರಸನಾಗಿದ್ದರೆ ನಿನ್ನನ್ನು ರಕ್ಷಿಸಿಕೋ ಅಂದರು. ೩೮ ಇದಲ್ಲದೆ ಆತನ ಮೇಲ್ಗಡೆಯಲ್ಲಿ
ಇವನು ಯೆಹೂದ್ಯರ ಅರಸನು ಎಂಬುದಾಗಿ ಒಂದು ವಿಳಾಸವಿತ್ತು. ೩೯ ತೂಗಹಾಕಿದ್ದ ಆ
ದುಷ್ಕರ್ಮಿಗಳಲ್ಲಿ ಒಬ್ಬನು ಆತನನ್ನು ದೂಷಿಸಿ – ನೀನು ಬರಬೇಕಾದ ಕ್ರಿಸ್ತನಲ್ಲವೇ ನಿನ್ನನ್ನು
ರಕ್ಷಿಸಿಕೋ, ನಮ್ಮನ್ನು ರಕ್ಷಿಸು ಎಂದು ಹೇಳಿದ್ದಕ್ಕೆ, ೪೦ ಎರಡನೆಯವನು ಅವನನ್ನು ಗದರಿಸಿ
– ನೀನು ಇದೇ ದಂಡನೆಯಲ್ಲಿರುವಾಗಲೂ ದೇವರಿಗೆ ಹೆದರುವದಿಲ್ಲವೋ? ೪೧ ನಾವಂತೂ
ನ್ಯಾಯವಾಗಿ ದಂಡನೆಯಲ್ಲಿದ್ದೇವೆ, ನಾವು ಮಾಡಿದ್ದಕ್ಕೆ ತಕ್ಕ ಪ್ರತಿಫಲವನ್ನು ಹೊಂದುತ್ತಾ ಇದ್ದೇವೆ.
ಈತವಾದರೋ ಅಲ್ಲದ್ದೇನೂ ಮಾಡಲಿಲ್ಲ ಎಂದು ಹೇಳಿ, ೪೨ ಯೇಸುವೇ ನೀನು ನಿನ್ನ ರಾಜ್ಯವನ್ನು
ಪಡೆದವನಾಗಿ ಬರುವಾಗ ನನ್ನನ್ನು ನೆನಸಿಕೋ ಅಂದನು. ೪೩ ಅದಕ್ಕೆ ಯೇಸು - ಈಹೊತ್ತೇ ನನ್ನ
ಸಂಗಡ ಪರದೈಸಿನಲ್ಲಿರುವಿ ಎಂದು ನಿನಗೆ ಸತ್ಯವಾಗಿ ಹೇಳುತ್ತೇನೆ ಎಂದು ಉತ್ತರಕೊಟ್ಟನು.
೪೪ ಇಷಟರಲ್ಲಿ ಹೆಚ್ಚು ಕಡಿಮೆ ಮದ್ಯಾಹ್ನವಾಯಿತು. ೪೫ ಆಗಲಿಂದ ಸೂರ್ಯನು ಕಾಂತಿಗುಂದಿ
ಮೂರು ಘಂಟೆಯ ತನಕ ಆ ದೇಶದ ಮೇಲೆಲ್ಲಾ ಕತ್ತಲೆ ಕವಿಯಿತು. ಇದಲ್ಲದೆ ದೇವಾಲಯದ
ತೆರೆಯು ನಡುವೆ ಹರಿದು ಹೋಯಿತು. ೪೬ ಆ ಮೇಲೆ ಯೇಸು – ತಂದೆಯೇ ನನ್ನ ಆತ್ಮವನ್ನು
ನಿನ್ನ ಕೈಗೆ ಒಪ್ಪಿಸಿಕೊಡುತ್ತೇನೆ ಎಂದು ಮಹಾಧ್ವನಿಯಿಂದ ಕೂಗಿದನು. ಇದನ್ನು ಹೇಳಿದ
ಮೇಲೆ ಪ್ರಾಣಬಿಟ್ಟನು. ೪೭ ಶತಾಧಿಪತಿಯು ನಡೆದ ಸಂಗತಿಯನ್ನು ನೋಡಿ – ಈ ಮನುಷ್ಯನು
ಸತ್ಪುರುಷನೇ ನಿಜ ಎಂದು ದೇವರನ್ನು ಕೊಂಡಾಡಿದನು. ೪೮ ಈ ನೋಟಕ್ಕಾಗಿ ಕೂಡಿ ಬಂದಿದ್ದ
ಜನರೆಲ್ಲರು ನಡೆದ ಸಂಗತಿಯನ್ನು ನೋಡಿ ಎದೆಬಡುಕೊಳ್ಳುತ್ತಾ ಹಿಂತಿರುಗಿ ಹೋದರು.
೪೯ ಇದಲ್ಲದೆ ಆತವ ಹರಿಚಿತಿಯವರೆಲ್ಲರೂ ಗಲಿಲಾಯದಿಂದ ಆತನ ಹಿಂದೆ ಬಂದಿದ್ದ ಸ್ತ್ರೀಯರೂ
ದೂರದಲ್ಲಿ ನಿಂತು ಈ ಸಂಗತಿಗಳನ್ನು ನೋಡುತ್ತಿದ್ದರು.

### ಯೇಸುವನ್ನು ಸಮಾಧಿಯಲ್ಲಿ ಇಟ್ಟದ್ದು.

ಮತ್ತಾ ೨೭. ೫೭-೬೧; ಮಾರ್ಕ ೧೫.೪೨-೪೭ ಯೋಹಾ ೧೯.೩೮-೪೨

೫೦-೫೧ ಅರಿಮತ್ತಾಯವೆಂಬ ಯೆಹೂದ್ಯರದೊಂದು ಪಟ್ಟಣದ ಒಬ್ಬ ಮನುಷ್ಯನಿದ್ದನು. ಅವನ
ಹೆಸರು ಯೋಸೇಫನು. ಅವನು ಹಿರೀಸಭೆಯವನು ಉತ್ತಮನು ಸತ್ಪುರುಷನು ದೇವರ
ರಾಜ್ಯವನ್ನು ಎದುರುನೋಡುತ್ತಿದ್ದವನು. ಅವನು ಹಿರೀಸಭೆಯವರ ಆಲೋಚವೆಗೂ ಕೃತ್ಯಕ್ಕೂ
ಸಮ್ಮತಿಪಟ್ಟಿರಲಿಲ್ಲ. ೫೨ ಅವನು ಪಲಾತವ ಬಳಿಗೆ ಹೋಗಿ ಯೇಸುವಿನ ದೇಹವನ್ನು ತನಗೆ
ಕೊಡಿಸಬೇಕೆಂದು ಬೇಡಿಕೊಂಡು. ೫೩ ಅದನ್ನು ಇಳಿಸಿ ನಾರುಮಡಿಯಲ್ಲಿ ಸುತ್ತಿ ಬಂಡೆಯಲ್ಲಿ
ತೋಡಿದ್ದ ಸಮಾಧಿಯನ್ನಿ ಇಟ್ಟನು.ಅದರಲ್ಲಿ ಅದುವರೆಗೆ ಯಾರನ್ನು ಮಲಗಿಸಿರಲಿಲ್ಲ. ೫೪ ಆ
ದಿನವು ಸೌರಣೆಯ ದಿನವಾಗಿತ್ತು. ಮತ್ತು ಸಬ್ಬತ್ ದಿನ ಪ್ರಾರಂಭವಾಗುವದಕ್ಕೆ ಸ್ವಲ್ಪ ಹೊತ್ತು ಮಾತ್ರ
ಇತ್ತು ೫೫ ಹೀಗಿರುವಲ್ಲಿ ಗಲಿಲಾಯದಿಂದ ಆತನ ಸಂಗಡ ಬಂದಿದ್ದ ಸ್ತ್ರೀಯರು ಜೊತೆಯಲ್ಲಿ
ಹಿಂದೆಯೇ ಹೋಗಿ ಆ ಸಮಾಧಿಯನ್ನೂ ಆತನ ದೇಹವನ್ನಿಟ್ಟ ರೀತಿಯನ್ನು ನೋಡಿ-
೫೬ ಹಿಂತಿರುಗಿ ಬಂದು ಪರಿಮಳದ್ರವ್ಯಗಳನ್ನೂ ಸಿದ್ಧಮಾಡಿಕೊಂಡರು.

## ಯೇಸುವಿನ ಹುನರುತ್ಥಾನವು

(ಮತ್ತಾ ೨೮.೧-೮ ಮಾರ್ಕ ೧೬. ೧-೧೮. ಯೋಹಾ ೨೦.೧-೨೩ . ೧ಕೊರಿ ೧೫ .೫) ೧ ಆ ಸ್ತ್ರೀಯರು
ಸಬ್ಬತ್ ದಿನದಲ್ಲಿ ಧರ್ಮನಿಯಮದ ಪ್ರಕಾರ ವಿಶ್ರಮಿಸಿಕೊಂಡು ವಾರದ ಮೊದಲನೆಯ
ದಿವಸದಲ್ಲಿ ಇನ್ನೂ ಮೊಬ್ಬಿರುವಾಗ ತಾವು ಸಿದ್ದಮಾಡಿದ್ದ ಸುಗಂಧದ್ರವ್ಯಗಳನ್ನು ಇಗಿದುಕೊಂಡು
ಸಮಾಧಿಗೆ ಬಂದರು. ೨ಸಮಾಧಿಗೆ ಮುಚ್ಚಿ ಕಲ್ಲು ಅಲ್ಲಿಂದ ಉರುಳಿಸಲ್ಪಟ್ಟಿರುವದನ್ನು ಕಂಡು ಒಳಕ್ಕೆ
ಹೋಗಿ ನೋಡುವಲ್ಲಿ ೩ ಯೇಸು ಸ್ವಾಮಿಯ ದೇಹವು ಕಾಣಲಿಲ್ಲ. ೪ ಈ ವಿಷಯವಾಗಿ ಅವರಿಗೆ
ಗಲಿಬಿಲಿ ಉಂಟಾದಾಗ ಹೊಳೆಯುವ ಉಡುಪನ್ನು ಧರಿಸಿದ್ದ ಇಬ್ಬರು ಪುರುಷರು ಅಕಸ್ಮಾತಾಗಿ
ಅವರ ಬಳಿಯಲ್ಲಿ ನಿಂತುಕೊಂಡರು. ೫ ಆ ಸ್ತ್ರೀಯರು ಭಯಹಿಡಿದವರಾಗಿತಮ್ಮ ಮುಖಗಳನ್ನು
ನೆಲದ ಕಡೆಗೆ ಬೊಗ್ಗಿಸಿಕೊಂಡಿರುವಾಗ ಆ ಪುರುಷರು ಅವರಿಗೆ – ಸತ್ತವರೊಳಗೆ
ಬದುಕಿರುವವನನ್ನು ಹುಡುಕುವದೇನು? ಆತನು ಇಲ್ಲಿ ಇಲ್ಲಾ , ಎದ್ದಿದ್ದಾನೆ. ೬-೭ ಆತನು ಇನ್ನೂ
ಗಲಿಲಾಯದಲ್ಲಿದ್ದಾಗ - ಮನುಷ್ಯಕುಮಾರನು ಪಾಪಿಗಳಾದ ಮನುಷ್ಯರ ಕೈಗೆ ಒಪ್ಪಿಸಲ್ಪಟ್ಟು,
ಶಿಲುಬೆಗೆ ಹಾಕಲ್ಪಟ್ಟು ಮೂರನೇಯ ದಿನದಲ್ಲಿ ಎದ್ದು ಬರುವದು ಅಗತ್ಯವೆಂದು ನಿಮಗೆ
ಹೇಳಿದ್ದನ್ನು ನೆನಪಿಗೆ ತಂದುಕೊಳ್ಳಿರಿ ಎಂದು ಹೇಳಿದನು. ೮ ಸ್ತ್ರೀಯರು ಆತವ ಮಾತುಗಳನ್ನು
ನೆನಪಿಗೆ ತಂದುಕೊಂಡು, ೯ ಅಮಾಧಿಯ ಬಳಿಯಿಂದ ಹಿಂತಿರುಗಿ ಹೋಗಿ ಆ
ಸಂಗತಿಗಳನ್ನೆಲ್ಲಾ ಹನ್ನೊಂದು ಮಂದಿ ಶಿಷ್ಯರಿಗೂ ಉಳಿದವರೆಲ್ಲರಿಗೂ ತಿಳಿಸಿದರು. ೧೦ ಆ
ಸ್ತ್ರೀಯರು ಯಾರಂದರೆ ಮಗ್ದಲದ ಮರಿಯಳು, ಯೋಹಾನಳು ಯಾಕೋಬನ ತಾಯಿಯಾದ
ಮರಿಯಳು ಇವರೇ. ಇವರ ಜೊತೆಯಲ್ಲಿದ್ದ ಬೇರೆ ಸ್ತ್ರೀಯರು ಸಹ ಅಪೊಸ್ತಲರಿಗೆ ಆ
ಸಂಗತಿಗಳನ್ನು ಹೇಳಿದರು. ಅವರು ನಂಬಲಿಲ್ಲ. ೧೧ ಆ ಮಾತುಗಳು ಅವರಿಗೆ ಬರೀ ಹರಟೆಯಾಗಿ
ತೋರಿದವು. ೧೨ ಆದರೆ ಪೇತ್ರನು ಎದ್ದು ಓಡಿ ಹೋಗಿ ಬೊಗ್ಗಿ ನೋಡಿ ನಾರುಬಟ್ಟೆಗಳನ್ನು ಮಾತ್ರ
ಕಂಡು ನಡೆದ ಸಂಗತಿಗೆ ತನ್ನಲ್ಲಿ ಆಶ್ಚರ್ಯಪಡುತ್ತಾ ಹೋರಟು ಹೋದನು.

೨೪ ೧೩ ಅದೇ ದಿನದಲ್ಲಿ ಶಿಶ್ಯರಲ್ಲಿ ಇಬ್ಬರು ಯೆರೂಸಲೇಮಿಗೆ ಆರುವರೆ ಮೈಲು
ದೂರದಲ್ಲಿದ್ದ ಎಮ್ಮಾಹು ಎಂಬ ಳ್ಳಿಗೆ ಹೋಗುತ್ತಾ ೧೪ ಸಂಭವಿಸಿದ ಈ ಎಲ್ಲಾ ಕಾರ್ಯಗಳ
ವಿಷಯವಾಗಿ ಸಂಭಾಷಣೆಮಾಡುತ್ತಿದ್ದರು. ೧೫ ಅವರು ಸಂಭಾಷಣೆಯಲ್ಲಿ ಚರ್ಚಿಸುತ್ತಿರುವಾಗ
ಯೇಸು ತಾನೇ ಹತ್ತಿರಕ್ಕೆ ಬಂದು ಅವರ ಜೊತೆಯಲ್ಲಿ ಹೋದನು. ೧೬ ಆದರೆ ಅವರು ಆತನ
ಗುರುತನ್ನು ಹಿಡಿಯಲಿಲ್ಲ. ಅವರ ಕಣ್ಣು ಕಟ್ಟಿ ಹಾಗಾಯಿತು. ೧೭ ಆತನು ಅವರನ್ನು – ನೀವು
ಮಾರ್ಗದಲ್ಲಿ ಹೋಗುತ್ತಾ ಚರ್ಚಿಸಿ ಮಾತಾಡಿಕೊಳ್ಳುವ ಈ ಸಂಗತಿಗಳೇನು ಎಂದು ಕೇಳಲು,
ಅವರು ದು:ಖದ ಮುಖವುಳ್ಳವರಾಗಿ ನಿಂತರು. ೧೮ ಅಬರಲ್ಲಿ ಕ್ಲಿಯೋಫನೆಂಬವನು ಆತನನ್ನು –
ಯೆರೂಸಲೇಮಿಗೆ ಬಂದ ಪರಸ್ಥಳದವರೆಲ್ಲರಿಗೂ ಈ ದಿವಸಗಳಲ್ಲಿ ನಡೆದಿರುವ ಸಂಗತಿಗಳು
ಗೊತ್ತಿರಲಾಗಿ ನಿನಗೆ ಮಾತ್ರ ಗೊತ್ತಿಲ್ಲವೋ? ಎಂದು ಕೇಳಲು, ೧೯ ಆತನು ಅವರನ್ನು – ಯಾವ
ಸಂಗತಿಗಳು ಎಂದು ಕೇಳಿದನು. ಅದಕ್ಕೆ ಅವರು – ನಜರೇತಿನವನಾದ ಯೇಸುವಿನ ಸಂಗತಿಗಳೇ.
ಆತನು ದೇವರ ಮುಂದೆ ಮತ್ತು ಮನುಷ್ಯರ ಮುಂದೆ ಕೃತ್ಯದಲ್ಲಿಯೂ ಮಾತಿನಲ್ಲಿಯೂ
ಸಮರ್ಥನಾದ ಪ್ರವಾದಿಯಾಗಿದ್ದನು. ೨೦ ಆತನನ್ನು ಮಹಾಯಾಜಕರೂ ನಮ್ಮ ಅಧಿಕಾರಿಗಳೂ
ಮರಣದಂಡನೆಗೆ ಒಪ್ಪಿಸಿಕೊಟ್ಟು ಶಿಲುಬೆಗೆ ಹಾಕಿಸಿದರು. ೨೧ ನಾವಾದರೋ ಇಸ್ರಾಯೇಲ್
ಜನರನ್ನು ಬಿಡಿಸತಕ್ಕವನು ಆತನೇ ಎಂದು ನಿರೀಕ್ಷಿಸಿಕೊಂಡಿದ್ದೆವು. ಇದು ಮಾತ್ರವಲ್ಲೋಎ
ಆಕಾರ್ಯಗಳು ನಡೆದು ಈ ಹೊತ್ತು ಮೂರನೆಯ ದಿನ. ೨೨ ಆದರೂ ನಮ್ಮಲ್ಲಿ ಕೆಲವು ಮಂದಿ
ಸ್ತ್ರೀಯರು ಬೆಳಗಾಗುವಾಗ ಸಮಾಧಿಯ ಬಳಿಯಲ್ಲಿ ಇದ್ದು ಆತನ ದೇಹವನ್ನು ಕಾಣದೇ,
೨೩ ಅಲ್ಲಿಂದ ಬಂದು ತಮಗೆ ದೇವದೂತರ ದರ್ಶನವಾಯಿತೆಂತಲೂ ಆತನು ಬದುಕುತ್ತಾನೆಂದು
ಅವರು ಹೇಳಿದರೆಂತಲೂ ತಿಳಿಸಿ ನಮಗೆ ಅತ್ಯಾಶ್ಚರ್ಯವನ್ನುಂಟುಮಾಡಿದರು. ೨೪ ನಮ್ಮ ಸಂಗಡ
ಇದ್ದವರಲ್ಲಿ ಕೆಲವರು ಸಮಾಧಿಗೆ ಹೋಗಿ ಆ ಸ್ತ್ರೀಯರು ಹೇಳಿದ ಪ್ರಕಾರವೇ ಕಂಡರು. ಆತನನ್ನು
ಮಾತ್ರ ಕಾಣಲಿಲ್ಲ. ಎಂದು ಹೇಳಿದರು. ೨೫ ಆತನು ಅವರಿಗೆ – ಎಲಾ ಬುದ್ಧಿಯಿಲ್ಲದವರೇ,
ಪ್ರವಾದಿಗಳು ಹೇಳಿದ್ದೆಲ್ಲವನ್ನು ವಂಬಯವದರಲ್ಲಿ ಮಂದ ಹೃದಯರೇ, ೨೬ ಕ್ರಿಸ್ತನು ಇಂಥ
ಶ್ರಮಗಳನ್ನು ಅನುಭವಿಸಿ ತನ್ನ ಮಹಾಪದವಿಗೆ ಸೇರುವದು ಅಗತ್ಯವಾಗಿತ್ತಲ್ಲವೇ ಎಂದು ಹೇಳಿ,
೨೭ ಮೋಶೆಯ ಮತ್ತು ಎಲ್ಲಾ ಪ್ರವಾದಿಗಳ ಗ್ರಂಥಗಳು ಮೊದಲುಗೊಂಗುಸಮಸ್ತ ಗ್ರಂಥಗಳಲ್ಲಿ
ತನ್ನ ವಿಷಯವಗಿರುವ ಸೂಚನೆಗಳನ್ನು ಅವರಿಗೆ ವಿವರಿಸಿದನು. ೨೮ ಅವರು ಹೋಗುತ್ತಿರುವ
ಹಳ್ಳಿಯ ಸಮೀಪಕ್ಕೆ ಬಂದಾಗ ಆತನು ಇನ್ನೂ ಮುಂದಕ್ಕೆ ಹೋಗುವವನಂತೆ ಕಾಣಿಸಿದನು.

ಆದರೆ ಅವರು – ನಮ್ಮ ಸಂಗಡ ಇರು. ಸಂಜೆಯಾಯಿತು. ಹೊತ್ತು ಇಳಿಯುತ್ತಾ ಬಂತು ಎಂದು
ಆತನಿಗೆ ಹೇಳಿ ಬಲವಂತ ಮಾಡಲು ಆತನು ಅವರ ಕೂಡ ಇರುವದಕ್ಕೆ ಊರೊಳಕ್ಕೆ ಹೋದನು.
[೩೦] ಆತನು ಅವರ ಸಂಗಡ ಊಟಕ್ಕೆ ಕೂತುಕೊಂಡಾಗ ರೊಟ್ಟಿಯನ್ನು ತೆಗೆದುಕೊಂಡು ದೇವರ
ಸ್ತ್ರೋತ್ರ ಮಾಡಿ ಮುರಿದು ಅವರಿಗೆ ಕೊಡುತ್ತಿರಲಾಗಿ ಅವರ ಕಣ್ಣುಗಳು ತೆರೆದವು. ಅವರು ಆತವ
ಗುರುತನ್ನು ಹಿಡಿದರು. [೩೧] ಆತನು ಅವರ ಕಣ್ಣಿಗೆ ಮಾಯವಾದನು. [೩೨] ಆಗ ಅವರು ಒಬ್ಬರಿಗೊಬ್ಬರು
– ಆತನು ದಾರಿಯಲ್ಲಿ ನಮ್ಮ ಸಂಗಡ ಮಾತಾಡಿದಾಗಲೂ ಗ್ರಂಥಗಳ ಅರ್ಥವನ್ನು ವಮಗೆ
ಬಿಚ್ಚಿ ಹೇಳಿದಾಗಲೂನಮ್ಮ ಹೃದಯವು ನಮ್ಮಲ್ಲಿ ಕುದಿಯಿತಲ್ಲವೇ ಎಂದು ಹೇಳಿಕೊಂಡು
[೩೩] ಅದೇ ಗಳಿಗೆಯಲ್ಲಿ ಎದ್ದು ಯೆರೂಸಲೇಮಿಗೆ ಹಿಂತಿರುಗಿ ಹೋದರು. ಅಲ್ಲಿ ಹನ್ನೊಂದು
ಮಂದಿ ಶಿಷ್ಯರೂ ಅವರ ಸಂಗಡ ಇದ್ದವರೂ ಒಟ್ಟಾಗಿ ಕೂಡಿಕೊಂಡಿದ್ದು [೩೪] ಸ್ವಾಮಿ ಎದ್ದದ್ದು
ನಿಜ. ಆತನು ಸೀಮೋನನಿಗೆ ಕಾಣಿಸಿಕೊಂಗನು ಎಂದು ಹೇಳುತ್ತಿದ್ದರು. [೩೫] ಇದನ್ನು ಕಂಡು
ಅವರು ದಾರಿಯಲ್ಲಿ ನಡೆದ ಸಂಗತಿಯನ್ನೂ ರೊಟ್ಟಿ ಮುರಿಯುವದರಲ್ಲಿ ತಾವು ಆತವ ಗುರುತು
ಹಿಡಿದೆವೆಂಬದನ್ನೂ ವಿವರಿಸಿದರು.

[೩೬] ಅವರು ಈ ಸಂಗತಿಗಳನ್ನು ಕುರಿತು ಮಾತಾಡುತ್ತಿರುವಾಗ ಆತನೇ ಅವರ ನಡುವೆ ನಿಂತು
ನಿಮಗೆ ಮವಶ್ಯಾಂತಿಯಾಗಲಿ ಎಂದು ಅವರಿಗೆ ಹೇಳಿದನು. [೩೭] ಅವರು ದಿಗಿಲುಬಿದ್ದು
ಭಯಹಿಡಿದವರಾಗಿ ತಾವು ಕಂಡದ್ದನ್ನು ಭೂತವೆಂದು ಭಾವಿಸಿದರು. [೩೮] ಆತನು ಅವರಿಗೆ – ಯಾಕೆ
ಕಳವಳಗೊಳ್ಳುತ್ತೀರಿ? ನಿಮ್ಮ ಹೃದಯಗಳಲ್ಲಿ ಅನುಮಾನಗಳು ಹುಟ್ಟುವದೇಕೆ? ನನ್ನ ಕೈಗಳನ್ನೂ
ನನ್ನ ಕಾಲುಗಳನ್ನೂ ನೋಡಿರಿ. ನಾನೇ ಅಲ್ಲವೇ, ನನ್ನನ್ನು ಮುಟ್ಟಿ ನೋಡಿರಿ. [೩೯] ನಿಮಗೆ ಕಾಣುವ
ಪ್ರಕಾರ ನನಗೆ ಮಾಂಸವೂ ಎಲುಬುಗಳೂ ಉಂಟು. ಅವು ಭೂತಕ್ಕಿಲ್ಲ ಎಂದು ಹೇಳಿದನು. [೪೦] ಇದನ್ನು
ಹೇಳಿದ ಮೇಲೆ ಆತನು ತನ್ನ ಕೈಗಳನ್ನೂ ಕಾಲುಗಳನ್ನೂ ಅವರಿಗೆ ತೋರಿಸಿದನು. [೪೧] ಆದರೆ
ಅವರು ಸಂತೋಷದ ದೆಸೆಯಿಂದ ಇನ್ನೂ ನಂಬದೇ ಆಶ್ಚರ್ಯಪಡುತ್ತಿರಲಾಗಿ ಆತನು – ತಿನ್ನತಕ್ಕ
ಪದಾರ್ಥವೇನಾದರೂ ಇಲ್ಲಿ ನಿಮಗುಂಟೋ ಎಂದು ಅವರನ್ನು ಕೇಳಲು [೪೨] ಅವರು ಸುಟ್ಟ ಮೀನಿನ
ಒಂದು ತುಂಡನ್ನು ಆತನಿಗೆ ಕೊಟ್ಟರು. [೪೩] ಆತನು ತಕ್ಕೊಂಡು ಅವರ ಮುಂದೆ ತಿಂದನು.

[೪೪] ತರುವಾಯ ಆತನು – ನಾನು ಇನ್ನೂ ನಿಮ್ಮ ಸಂಗಡ ಇದ್ದಾಗ ಇದೆಲ್ಲಾ ನಿಮಗೆ
ತಿಳಿಸಲಿಲ್ಲವೇ?ನನ್ನ ವಿಷಯವಾಗಿ ಮೋಶೆಯ ಧರ್ಮಶಾಸ್ತ್ರದಲ್ಲಿಯೂ ಪ್ರವಾಧಿಗಳ
ಗ್ರಂಥಗಳಲ್ಲಿಯೂ ಕೀರ್ತನೆಗಳಲ್ಲಿಯೂ ಬರೆದಿರುವದೆಲ್ಲಾ ನೆರವೇರುವದು ಅಗತ್ಯವೆಂದು
ನಿಮಗೆ ಹೇಳಲಿಲ್ಲಬೇ ಅಂದನು. [೪೫] ಆ ಮೇಲೆ ಅವರು ಶಾಸ್ತ್ರ ವಚನಗಳನ್ನು ತಿಳುಕೊಳ್ಳುವಂತೆ
ಆತನು ಅವರ ಬುದ್ಧಿಯನ್ನು ತೆರೆದು, [೪೬] ಅವರಿಗೆ- ಕ್ರಿಸ್ತನು ಶ್ರಮೆ ಪಟ್ಟು ಸತ್ತು ಮೂರನೆಯ
ದಿನದಲ್ಲಿ ಜೀವಿತನಾಗಿ ಎದ್ದು ಬರುವನೆಂತಲೂ. [೪೭] ಪಾಪಪರಿಹಾರಕ್ಕೋಸ್ಕರ ದೇವರ ಕಡೆಗೆ
ತಿರುಗಿಕೊಳ್ಳಬೇಕೆಂಬ ಮಾತು ಯೆರೂಸಲೇಮು ಮೊದಲುಗೊಂಡು ಸಮಸ್ತ ದೇಶದವರಿಗೂ
ಆತನ ಹೆಸರಿನಲ್ಲಿ ಸಾರಲ್ಪಡುವದೆಂತಲೂ ಬರೆದದೆ. [೪೮] ಇವುಗಳ ವಿಷಯದಲ್ಲಿ ನೀವೇ
ಸಾಕ್ಷಿ ಹೇಳುವವರಾಗಿದ್ದೀರಿ. [೪೯] ಇಗೋ ನನ್ನ ತಂದೆಯು ವಾಗ್ದಾನ ಮಾಡಿದ್ದನ್ನು ನಿಮಗೆ
ಕಳುಹಿಸಿಕೊಡುತ್ತೇನೆ. ದೇವರು ಮೇಲಣ ಲೋಕದಿಂದ ನಿಮಗೆ ಶಕ್ತಿಯನ್ನು ಹೊದಿಸುವ
ತನಕ ಕಾದುಕೊಂಡಿರಿ ಎಂದು ಹೇಳಿದನು.

### ಯೇಸುವಿನ ಪರಲೋಕಾರೋಹಣವು

ಮಾರ್ಕ ೧೬.೧೯.೨೦ ಅ.ಕೃ. ೧ . ೪ -೧೪

[೫೦] ಮತ್ತು ಆತನು ಅವರನ್ನು ಬೇಥಾನ್ಯದ ತನಕ ಕರಕೊಂಡು ಹೋಗಿ ತನ್ನ ಕೈಗಳನ್ನು ಎತ್ತಿ
ಸವರನ್ನು ಆಶೀರ್ವದಿಸಿದನು. [೫೧] ಆಶೀರ್ವದಿಸುತ್ತಿರುವಾಗ ಆತನು ಅವರನ್ನು ಬಿಟ್ಟು ಪರಲೋಕಕಕ್ಕೆ
ಒಯ್ಯಲ್ಪಟ್ಟನು. [೫೨] ಅವರು ಆತನನ್ನು ಆರಾಧಿಸಿ ಬಹು ಸಂತೋಷದಿಂದ ಯೆರೂಸಲೇಮಿಗೆ
ಹಂತಿರುಗಿ ಹೋಗಿ . [೫೩] ಯಾವಾಗಲೂ ದೇವಾಲಯದಲ್ಲಿ ದೇವರನ್ನು ಕೊಂಡಾಡುತ್ತಿದ್ದರು.

# ಅಪೊಸ್ತಲರ ಕೃತ್ಯಗಳ

೧ [೧] ಥೆಯೊಫಿಲನೇ, ನಾನು ಮೊದಲು ಬರೆದ ಚರಿತ್ರೆಯಲ್ಲಿ ಯೇಸು ಮಾಡುವದಕ್ಕೂ
ಉಪದೇಶಿಸುವದಕ್ಕೂ ಪ್ರಾರಂಭಿಸಿದ್ದೆಲ್ಲವನ್ನು ಹೇಳಿ [೨] ತಾನು ಆರಿಸಿಕೊಂಡಿದ್ದ
ಅಪೊಸ್ತಲರಿಗೆ ಪವಿತ್ರಾತ್ಮನ ಮೂಲಕ ಆಜ್ಞೆಕೊಟ್ಟು ಮೇಲಣಲೋಕವನ್ನೇರಿದ ದಿನ ವರೆಗೆ
ವಿವರಿಸಿದೆನಷ್ಟೆ. [೩] ಆತನು ಬಾಧೆಪಟ್ಟು ಸತ್ತ ಮೇಲೆ ತನ್ನನ್ನು ಜೀವಂತನೆಂದು ಅನೇಕ
ಪ್ರಮಾಣಗಳಿಂದ ಅಪೊಸ್ತಲರಿಗೆ ತೋರಿಸಿಕೊಂಡನು. ನಾಲ್ವತ್ತು ದಿವಸಗಳ ತನಕ ಅವರಿಗೆ
ಕಾಣಿಸಿಕೊಳ್ಳುತ್ತಾ ದೇವರ ರಾಜ್ಯದ ವಿಷಯವಾದ ಸಂಗತಿಗಳನ್ನು ಹೇಳುತ್ತಾ ಇದ್ದನು
[೪-೫] ಹೀಗಿರಲಾಗಿ ಆತನು ಅವರೊಂದಿಗೆ ಕೂಡಿದ್ದಾಗ್ಗೆ ಅವರಿಗೆ ಯೋಹಾನನಂತೂ
ನೀರಿನಲ್ಲಿ ದೀಕ್ಷಾಸ್ನಾನ ಮಾಡಿಸಿದನು, ನಿಮಗಾಗರೋ ಇನ್ನು ಸ್ವಲ್ಪ ದಿವಸಗಳೊಳಗಾಗಿ
ಪವಿತ್ರಾತ್ಮದಲ್ಲಿ ಸ್ನಾನವಾಗುವದು. ಆದಕಾರಣ ನೀವು ಯೆರೂಸಲೇಮನ್ನು ಬಿಟ್ಟುಹೋಗದೆ
ತಂದೆ ಮಾಡಿದಂಥ ನೀವು ನನ್ನಿಂದ ಕೇಳಿದಂಥ ವಾಗ್ದಾನಕ್ಕೆ ಕಾದುಕೊಂಡಿರ್ರಿ ಎಂದು ಅಪ್ಪಣೆ
ಕೊಟ್ಟನು. [೬] ಕೂಡಿಬಂದವರು ಆತನನ್ನು - ಸ್ವಾಮೀ, ನೀನು ಇದೇ ಕಾಲದಲ್ಲಿ ಇಸ್ರಾಯೇಲ್
ಜನರಿಗೆ ರಾಜ್ಯವನ್ನು ತಿರಿಗಿ ಸ್ಥಾಪಿಸಿಕೊಡುವಿಯೋ? ಎಂದು ಕೇಳಲು [೭] ಆತನು ಅವರಿಗೆ -
ತಂದೆಯು ಸ್ವಂತ ಅಧಿಕಾರದಲ್ಲಿಟ್ಟುಕೊಂಡಿರುವ ಕಾಲಗಳನ್ನೂ ಸಮಯಗಳನ್ನೂ ತಿಳುಕೊಳ್ಳುವದು
ನಿಮ್ಮ ಕೆಲಸವಲ್ಲ. [೮] ಆದರೆ ಪವಿತ್ರಾತ್ಮ ನಿಮ್ಮ ಮೇಲೆ ಬರಲು ನೀವು ಬಲವನ್ನು ಹೊಂದಿ
ಯೆರೂಸಲೇಮಿನಲ್ಲಿಯೂ ಎಲ್ಲಾ ಯೂದಾಯ ಸಮಾರ್ಯ ಸೀಮೆಗಳಲ್ಲಿಯೂ ಭೂಲೋಕದ
ಕಟ್ಟಕಡೆಯವರೆಗೂ ನನಗೆ ಸಾಕ್ಷಿಗಳಾಗಿರಬೇಕು ಅಂದನು. [೯] ಈ ಮಾತುಗಳನ್ನು ಹೇಳಿದ
ಬಳಿಕ ಅವರು ನೋಡುತ್ತಾ ಇದ್ದ ಹಾಗೆ ಆತನು ಏರಿಸಲ್ಪಟ್ಟನು; ಮೋಡವು ಆತನನ್ನು
ಕವಿದುಕೊಂಡದ್ದರಿಂದ ಅವರ ಕಣ್ಣಿಗೆ ಮರೆಯಾದನು. [೧೦] ಆತನು ಹೋಗುತ್ತಿರುವಾಗ ಅವರು
ಆಕಾಶದ ಕಡೆಗೆ ದೃಷ್ಟಿಸಿ ನೋಡುತ್ತಾ ಇರಲಾಗಿ ಶುಭ್ರ ವಸ್ತ್ರಧಾರಿಗಳಾದ ಇಬ್ಬರು ಪುರುಷರು
ಫಕ್ಕನೆ [೧೧] ಅವರ ಹತ್ತರ ನಿಂತುಕೊಂಡು - ಗಲಿಲಾಯದವರೇ, ನೀವು ಯಾಕೆ ಆಕಾಶದ ಕಡೆಗೆ
ನೋಡುತ್ತಾ ನಿಂತಿದ್ದೀರಿ? ನಿಮ್ಮ ಬಳಿಯಿಂದ ಆಕಾಶದೊಳಕ್ಕೆ ಸೇರಿಸಲ್ಪಟ್ಟಿರುವ ಈ ಯೇಸು
ಯಾವ ರೀತಿಯಲ್ಲಿ ಆಕಾಶದೊಳಕ್ಕೆ ಹೋಗಿರುವದನ್ನು ನೀವು ಕಂಡಿರೋ ಅದೇ ರೀತಿಯಲ್ಲಿ
ಬರುವನು ಎಂದು ಹೇಳಿದರು.

[೧೨] ಆಗ ಅವರು ಎಣ್ಣೇಮರಗಳ ತೋಪು ಎನಿಸಿಕೊಳ್ಳುವ ಗುಡ್ಡದಿಂದ ಯೆರೂಸಲೇಮಿಗೆ
ಹಿಂತಿರುಗಿ ಬಂದರು. ಆ ಗುಡ್ಡಕ್ಕೂ ಯೆರೂಸಲೇಮಿಗೂ ಸಬ್ಬತ್ ದಿನದಲ್ಲಿ ಪ್ರಯಾಣಮಾಡುವಷ್ಟು
ದೂರ. [೧೩] ಅವರು ಅಲ್ಲಿಗೆ ಬಂದು ತಾವು ಇರುತ್ತಿದ್ದ ಮೇಲಂತಸ್ತಿಗೆ ಹೋದರು; ಯಾರಾರಂದರೆ
- ಪೇತ್ರ, ಯೋಹಾನ, ಯಾಕೋಬ, ಅಂದ್ರೆಯ, ಫಿಲಿಪ್ಪ, ತೋಮ, ಬಾರ್ತೊಲೊಮಾಯ,
ಮತ್ತಾಯ, ಅಲ್ಫಾಯನ ಯಾಕೋಬ, ಮತಾಭಿಮಾನಿ ಅನ್ನಿಸಿಕೊಂಡ ಸೀಮೋನ, ಯಾಕೋಬನ
ಯೂದ, ಇವರೇ. [೧೪] ಇವರೆಲ್ಲರು ಏಕಮನಸ್ಸಾಗಿ ದೇವರ ಪ್ರಾರ್ಥನೆಯಲ್ಲಿ ನಿರತರಾಗಿದ್ದರು.
ಕೆಲವು ಮಂದಿ ಹೆಂಗಸರೂ ಯೇಸುವಿನ ತಾಯಿಯಾದ ಮರಿಯಳೂ ಆತನ ತಮ್ಮಂದಿರೂ ಅವರ
ಸಂಗಡ ಇದ್ದರು.

## ಯೂದನಿಗೆ ಬದಲಾಗಿ ಬೇರೊಬ್ಬನನ್ನು ಅಪೊಸ್ತಲನಾಗಿ ಆದುಕೊಂಡದ್ದು

[೧೫] ಆ ದಿವಸಗಳಲ್ಲಿ ಸುಮಾರು ನೂರಿಪ್ಪತ್ತು ಮಂದಿ ಸಹೋದರರು ಕೂಡಿಬಂದಿರಲಾಗಿ
ಪೇತ್ರನು ಅವರ ಮಧ್ಯದಲ್ಲಿ ಎದ್ದು ನಿಂತು ಹೇಗಂದನು - [೧೬] ಸಹೋದರರೇ, ಯೇಸುವನ್ನು
ಹಿಡಿದುಕೊಂಡವರಿಗೆ ದಾರೀತೋರಿಸಿದ ಯೂದನ ವಿಷಯವಾಗಿ ಪವಿತ್ರಾತ್ಮನು ದಾವೀದನ
ಬಾಯಿಂದ ಮೊದಲೇ ಹೇಳಿಸಿದ ಶಾಸ್ತ್ರವಚನವು ನೆರವೇರುವದು ಅವಶ್ಯವಾಗಿತ್ತು.
[೧೭] ಯೂದನು ನಮ್ಮ ಲೆಕ್ಕದಲ್ಲಿ ಸೇರಿ ಈ ಸೇವೆಯಲ್ಲಿ ಪಾಲು ಹೊಂದಿದವನಾಗಿದ್ದನು.
[೧೮] (ಈ ಮನುಷ್ಯನು ತನ್ನ ದ್ರೋಹದಿಂದ ಸಂಪಾದಿಸಿದ ಹಣಕ್ಕೆ ಒಂದು ಹೊಲವನ್ನು ಕೊಂಡು
ಕೊಂಡನು; ಮತ್ತು ತಲೆಕೆಳಗಾಗಿ ಬಿದ್ದು ಅವನ ಹೊಟ್ಟೆ ಬಡೆದು ಕರುಳುಗಳೆಲ್ಲಾ ಹೊರಗೆ
ಸುರಿದವು. [೧೯] ಇದು ಯೆರೂಸಲೇಮ್ ಪಟ್ಟಣದ ನಿವಾಸಿಗಳಿಗೆಲ್ಲಾ ತಿಳಿದುಬಂದದರಿಂದ ಆ
ಹೊಲಕ್ಕೆ ಅವರ ಮಾತಿನಲ್ಲಿ ಅಕೆಲ್ದಮಾ, ಅಂದರೆ ಜೀವಹತ್ಯದ ಹೊಲ ಎಂಬ ಹೆಸರು ಬಂತು.)
[೨೦] ಅವನ ವಿಷಯವಾಗಿ - ಅವನ ಮನೆ ಹಾಳುಬೀಳಲಿ, ಅದು ಜನಶೂನ್ಯವಾಗಲಿ ಎಂತಲೂ

ಅವನ ಉದ್ಯೋಗವು ಮತ್ತೊಬ್ಬನಿಗಾಗಲಿ ಎಂತಲೂ ಕೀರ್ತನೆಗಳ ಗ್ರಂಥದಲ್ಲಿ ಬರೆದದೆ. [೨೧-
೨೨] ಆದದರಿಂದ ಕರ್ತನಾದ ಯೇಸು ನಮ್ಮಲ್ಲಿ ಬರುತ್ತಾ ಹೋಗುತ್ತಾ ಇದ್ದಕಾಲವೆಲ್ಲಾ, ಅಂದರೆ
ಯೋಹಾನನು ದೀಕ್ಷಾಸ್ನನ ಮಾಡಿಸಿದ್ದು ಮೊದಲುಗೊಂಡು ಯೇಸು ನಮ್ಮ ಬಳಿಯಿಂದ
ಮೇಲಣಲೋಕವನ್ನೇರಿದ ದಿನದ ವರೆಗೂ ನಮ್ಮ ಜೊತೆಯಲ್ಲಿದ್ದವರೊಳಗೆ ಒಬ್ಬನು
ನಮ್ಮೊಂದಿಗೆ ಆತನ ಪುನರುತ್ಥಾನದ ವಿಷಯದಲ್ಲಿ ಸಾಕ್ಷಿಹೇಳುವವನಾಗಬೇಕು ಅಂದನು [೨೩] ಈ
ಮಾತುಗಳನ್ನು ಕೇಳಿ ಅವರು ಯೂಸ್ತನೆನಿಸಿಕೊಳ್ಳುವ ಬಾರ್ಸಬನೆಂಬ ಯೋಸೇಫನನ್ನೂ
[೨೪-೨೫] ಮತ್ತೀಯವನ್ನೂ ನಿಲ್ಲಿಸಿ ಪ್ರಾರ್ಥನೆ ಮಾಡುತ್ತಾ - ಕರ್ತನೇ, ಎಲ್ಲರ ಹೃದಯವನ್ನು
ಬಲ್ಲಾತನೇ, ಯೂದನು ಅಪೊಸ್ತಲತನವೆಂಬ ಈ ಸೇವಾಸ್ಥಾನದಿಂದ ಭ್ರಷ್ಟನಾಗಿ ತನಗೆ ತಕ್ಕ ಸ್ಥಳಕ್ಕೆ
ಹೋಗಿರುವದರಿಂದ ಆ ಸ್ಥಾನವನ್ನು ಹೊಂದುವದಕ್ಕೆ ಈ ಇಬ್ಬರಲ್ಲಿ ನೀನು ಆರಿಸಿ ಕೊಂಡವನನ್ನು
ತೋರಿಸಿಕೊಡು ಎಂದು ಹೇಳಿದರು. [೨೬] ಆ ಮೇಲೆ ಅವರಿಗೋಸ್ಕರ ಚೀಟುಹಾಕಿದರು.
ಚೀಟು ಮತ್ತೀಯನಿಗೆ ಬಂದದರಿಂದ ಅವನು ಹನ್ನೊಂದು ಮಂದಿ ಅಪೊಸ್ತಲರ ಸಂಗಡ ಸೇರಿ
ಎಣಿಸಲ್ಪಟ್ಟನು.

### ಪವಿತ್ರಾತ್ಮವರವು ಬಂದದ್ದು; ಮೂರು ಸಾವಿರ ಜನ ಶಿಷ್ಯರ ಮಂಡಲಿಗೆ ಸೇರಿದ್ದು

೨ [೧] ಸಂಚಾಶತ್ತಮ ದಿನದ ಹಬ್ಬವು ಬಂದಿರಲಾಗಿ ಅವರೆಲ್ಲರು ಒಂದೇ ಸ್ಥಳದಲ್ಲಿ ಕೂಡಿದ್ದರು.
[೨] ಆಗ ಬಿರುಗಾಳಿ ಬೀಸುತ್ತದೋ ಎಂಬಂತೆ ಫಕ್ಕನೆ ಆಕಾಶದೊಳಗಿಂದ ಒಂದು ಶಬ್ದವುಂಟಾಗಿ
ಅವರು ಕೂತಿದ್ದ ಮನೆಯನ್ನೆಲ್ಲಾ ತುಂಬಿಕೊಂಡಿತು. [೩] ಉರಿಯಂತಿದ್ದ ನಾಲಿಗೆಗಳು
ವಿಂಗಡಿಸಿಕೊಳ್ಳುವ ಹಾಗೆ ಅವರಿಗೆ ಕಾಣಿಸಿ ಅವರಲ್ಲಿ ಒಬ್ಬೊಬ್ಬರ ಮೇಲೆ ಒಂದೊಂದಾಗಿ
ಕೂತುಕೊಂಡವು. [೪] ಆಗ ಅವರೆಲ್ಲರು ಪವಿತ್ರಾತ್ಮಭರಿತರಾಗಿ ಆ ಆತ್ಮ ತಮತಮಗೆ ನುಡಿಯುವ
ಶಕ್ತಿಯನ್ನು ಕೊಡುವ ಪ್ರಕಾರ ಬೇರೆಬೇರೆ ಭಾಷೆಗಳಿಂದ ಮಾತಾಡುವದಕ್ಕೆ ಪ್ರಾರಂಭಿಸಿದರು
[೫] ಆಕಾಶದ ಕೆಳಗಿರುವ ಎಲ್ಲಾ ದೇಶದವರೊಳಗಿಂದ ಬಂದ ಸದ್ಭಕ್ತರಾದ ಯೆಹೂದ್ಯರು
ಯೆರೂಸಲೇಮಿನಲ್ಲಿ ವಾಸವಾಗಿದ್ದರು. [೬] ಆ ಸಪ್ಪಳವಾದಾಗ ಜನರು ಗುಂಪು ಗುಂಪಾಗಿ
ಕೂಡಿಬಂದು ಪ್ರತಿಯೊಬ್ಬರು ತಮ್ಮತಮ್ಮ ಭಾಷೆಯಲ್ಲೇ ಇವರು ಮಾತಾಡುವದನ್ನು ಕೇಳಿ
ಭ್ರಮೆಗೊಂಡರು. [೭] ಎಲ್ಲರು ಆಶ್ಚರ್ಯದಿಂದ ಬೆರಗಾಗಿ - ಇಗೋ, ಮಾತಾಡುತ್ತಿರುವ ಇವರೆಲ್ಲರು
ಗಲಿಲಾಯದವರಲ್ಲವೇ. [೮] ನಾವು ಪ್ರತಿಯೊಬ್ಬರು ನಮ್ಮನಮ್ಮ ಹುಟ್ಟುಭಾಷೆಯಲ್ಲಿ ಇವರು
ಮಾತಾಡುವದನ್ನು ಕೇಳುತ್ತೇವಲ್ಲಾ, ಇದು ಹೇಗೆ? [೯] ಪಾರ್ಥ್ಯರೂ ಮೇದ್ಯರೂ ಏಲಾಮ್ಯರೂ
ಮೆಸೊಪೊತಾಮ್ಯ, ಯೂದಾಯ, ಕಪ್ಪದೋಕ್ಯ, [೧೦] ಪೊಂತ, ಆಸ್ಯ, ಫ್ರುಗ್ಯ, ಪಂಫುಲ್ಯ,
ಐಗುಪ್ತ, ಕುರೇನೆಯ ಮಗ್ಗುಲಲ್ಲಿರುವ ಲಿಬ್ಯ, ಈ ಸೀಮೆಗಳಲ್ಲಿ ವಾಸವಾಗಿರುವವರೂ
ರೋಮಾಪುರದಿಂದ ಬಂದು ಇಳಿದಿರುವ ಯೆಹೂದ್ಯರೂ ಯೆಹೂದ್ಯ ಮಾತಾವಲಂಬಿಗಳೂ
ಕ್ರೇತ್ಯರೂ ಅರಬೀದೇಶದವರೂ [೧೧] ಆಗಿರುವ ನಾವು ನಮ್ಮನಮ್ಮ ಭಾಷೆಗಳಲ್ಲಿ ಇವರು ದೇವರ
ಮಹತ್ತುಗಳ ವಿಷಯವಾಗಿ ಹೇಳುವದನ್ನು ಕೇಳುತ್ತೇವೆ ಅಂದುಕೊಂಡರು. [೧೨] ಎಲ್ಲರೂ ಬೆರಗಾಗಿ
ಕಳವಳಗೊಂಡು - ಇದೇನಾಗಿರಬಹುದು ಎಂದು ಒಬ್ಬರನ್ನೊಬ್ಬರು ಕೇಳುತ್ತಿದ್ದರು. [೧೩] ಕೆಲವರು -
ಇವರು ಮದ್ಯಪಾನ ಮಾಡಿ ಮತ್ತರಾಗಿದ್ದಾರೆಂದು ಹಾಸ್ಯ ಮಾಡಿದರು
[೧೪] ಆಗ ಪೇತ್ರನು ಹನ್ನೊಂದು ಮಂದಿ ಅಪೊಸ್ತಲರ ಸಹಿತ ಎದ್ದು ನಿಂತು ಘಟ್ಟಿಯಾದ
ಧ್ವನಿಯಿಂದ ಅವರಿಗೆ ಹೇಗೆ ಪ್ರಸಂಗಮಾಡಿದನು - ಯೆಹೂದ್ಯರೇ, ಯೆರೂಸಲೇಮಿನಲ್ಲಿ
ವಾಸವಾಗಿರುವ ಎಲ್ಲಾ ಜನರೇ, ಈ ಸಂಗತಿಯು ಏನೆಂದು ನಿಮಗೆ ಗೊತ್ತಾಗುವ ಹಾಗೆ ನನ್ನ
ಮಾತಿಗೆ ಕಿವಿಗೊಡಿರಿ; [೧೫] ನೀವು ಭಾವಿಸಿದಂತೆ ಇವರು ಅಮಲೇರಿದವರಲ್ಲ; ಈಗ ಬೆಳಿಗ್ಗೆ
ಒಂಭತ್ತು ಘಂಟೆಯಾಗಿದೆಯಷ್ಟೆ. [೧೬] ಆದರೆ ಇದು ಪ್ರವಾದಿಯಾದ ಯೋವೇಲನ ಮೂಲಕವಾಗಿ
ಹೇಳಿಸಿದ ಸಂಗತಿ. ಅದೇನಂದರೆ–
[೧೭] ಕಡೇ ದಿವಸಗಳಲ್ಲಿ ನಾನು ಎಲ್ಲಾ ಮನುಷ್ಯರ ಮೇಲೆ ನನ್ನ ಆತ್ಮವನ್ನು ಸುರಿಸುವೆನು;
ನಿಮ್ಮಲ್ಲಿರುವ ಗಂಡಸರೂ ಹೆಂಗಸರೂ ಪ್ರವಾದಿಸುವರು;
ನಿಮ್ಮ ಯೌವನಸ್ಥರಿಗೆ ದಿವ್ಯದರ್ಶನಗಳಾಗುವವು;
ನಿಮ್ಮ ಹಿರಿಯರಿಗೆ ಕನಸುಗಳು ಬೀಳುವವು;
[೧೮] ಇದಲ್ಲದೆ ಆ ದಿನಗಳಲ್ಲಿ ನನ್ನ ದಾಸದಾಸಿಯರ ಮೇಲೆಯೂ ನನ್ನ ಆತ್ಮವನ್ನು ಸುರಿಸುವೆನು;
ಅವರೂ ಪ್ರವಾದಿಸುವರು.
[೧೯-೨೦] ಕರ್ತನ ಆಗಮನದ ಗಂಭೀರವಾದ ಮಹಾ ದಿನವು ಬರುವದಕ್ಕೆ ಮುಂಚೆ

ಮೇಲೆ ಆಕಾಶದಲ್ಲಿ ಅದ್ಭುತಕಾರ್ಯಗಳನ್ನೂ
ಕೆಳಗೆ ಭೂಮಿಯಲ್ಲಿ ಸೂಚಕಕಾರ್ಯಗಳನ್ನೂ ಉಂಟುಮಾಡುವೆನು.
ರಕ್ತ, ಬೆಂಕಿ, ಹಬೆಯಂತೆ ಏರುವ ಹೊಗೆ, ಇವು ಉಂಟಾಗುವವು.
ಸೂರ್ಯನು ಕತ್ತಲಾಗುವನು, ಚಂದ್ರನು ರಕ್ತವಾಗುವನು.
೨೧ ಆದರೂ ಕರ್ತನ ನಾಮವನ್ನು ಹೇಳಿಕೊಳ್ಳುವವರೆಲ್ಲರಿಗೆ ರಕ್ಷಣೆಯಾಗುವದೆಂದು ದೇವರು
ಹೇಳುತ್ತಾನೆ ಎಂಬದೇ

೨೨ ಇಸ್ರಾಯೇಲ್ ಜನರೇ, ನನ್ನ ಮಾತುಗಳನ್ನು ಲಾಲಿಸಿರಿ - ನಜರೇತಿನ ಯೇಸು ಇದ್ದನಲ್ಲಾ,
ದೇವರು ನಿಮಗೂ ತಿಳಿದಿರುವಂತೆ ಆತನ ಕೈಯಿಂದ ಮಹತ್ತುಗಳನ್ನೂ ಅದ್ಭುತಗಳನ್ನೂ
ಸೂಚಕಕಾರ್ಯಗಳನ್ನೂ ನಿಮ್ಮಲ್ಲಿ ನಡಿಸಿ ಆತನನ್ನು ತನಗೆ ಮೆಚ್ಚಿಕೆಯಾದವನೆಂದು
ನಿಮಗೆ ತೋರಿಸಿಕೊಟ್ಟನು. ೨೩ ಆ ಯೇಸು ದೇವರ ಸ್ಥಿರಸಂಕಲ್ಪಕ್ಕೂ ಭವಿಷ್ಯದ್ ಜ್ಞಾನಕ್ಕೂ
ಅನುಸಾರವಾಗಿ ಒಪ್ಪಿಸಲ್ಪಟ್ಟಿರಲು ನೀವು ಅನ್ಯಜನರ ಕೈಯಿಂಪದ ಆತನನ್ನು ಶಿಲುಬೆಗೆ ಹಾಕಿಸಿ
ಕೊಂದಿರಿ. ೨೪ ಆತನನ್ನು ದೇವರು ಮರಣವೇದನೆಗಳಿಂದ ಬಿಡಿಸಿ ಎಬ್ಬಿಸಿದನು; ಯಾಕಂದರೆ
ಮರಣವು ಆತನನ್ನು ಹಿಡುಕೊಂಡಿರುವದು ಅಸಾಧ್ಯವಾಗಿತ್ತು. ೨೫ ಆತನ ವಿಷಯದಲ್ಲಿ ದಾವೀದನು
-

ಕರ್ತನು ಯಾವಾಗಲೂ ನನ್ನೆದುರಿನಲ್ಲಿರುವವನ್ನು ನೋಡುತ್ತಿದ್ದೆನು.
ನಾನು ಕದಲದಂತೆ ಆತನು ನನ್ನ ಬಲಗಡೆಯಲ್ಲಿಯೇ ಇದ್ದಾನೆ.
೨೬ ಆದಕಾರಣ ನನ್ನ ಹೃದಯವು ಹರ್ಷಿಸಿತು;
ನನ್ನ ನಾಲಿಗೆಯು ಉಲ್ಲಾಸಧ್ವನಿಯನ್ನು ಮಾಡಿತು.
ನನ್ನ ಶರೀರವೂ ನಿರೀಕ್ಷೆಯಿಂದ ನೆಲೆಯಾಗಿರುವದು;
೨೭ ಯಾಕಂದರೆ ನೀನು ನನ್ನ ಜೀವಾತ್ಮವನ್ನು ಪಾತಾಳದಲ್ಲಿ ಬಿಡುವದಿಲ್ಲ,
ನಿನ್ನ ಪ್ರಿಯನಿಗೆ ಕೊಳೆಯುವ ಅವಸ್ಥೆಯನ್ನು ನೋಡಗೊಡಿಸುವದಿಲ್ಲ.
೨೮ ಜೀವಮಾರ್ಗಗಳನ್ನು ನನಗೆ ತಿಳಿಯಪಡಿಸಿದ್ದೀ;
ನಿನ್ನ ಸಮ್ಮುಖದಲ್ಲಿ ನನ್ನನ್ನು ಆನಂದಭರಿತನಾಗಮಾಡುವಿ

ಎಂದು ಹೇಳಿದ್ದಾನೆ. ೨೯ ಸಹೋದರರೇ, ಮೂಲಪಿತೃವದ ದಾವೀದನ ವಿಷಯದಲ್ಲಿ
ನಾನು ಧೈರ್ಯದಿಂದ ನಿಮ್ಮ ಸಂಗಡ ಮಾತಾಡಬಹುದು ಏನಂದರೆ — ಅವನು ತೀರಿಹೋಗಿ
ಹೂಣಲ್ಪಟ್ಟನು; ಅವನ ಸಮಾಧಿ ಈ ದಿನದ ವರೆಗೂ ನಮ್ಮಲ್ಲಿ ಅದೆ. ೩೦ ಅವನು ಪ್ರವಾದಿಯಾಗಿದ್ದು
– ನಿನ್ನ ಸಂತತಿಯವರೊಳಗೆ ಒಬ್ಬನನ್ನು ನಾನು ನಿನ್ನ ಸಿಂಹಾಸನದ ಮೇಲೆ ಕುಳ್ಳಿರಿಸುವೆನೆಂದು
ತನಗೆ ದೇವರು ಆಣೆಯಿಟ್ಟು ಹೇಳಿದ್ದನ್ನು ಬಲ್ಲವನಾಗಿ ಮುಂದಾಗುವದನ್ನು ಕಂಡು ೩೧ ಕ್ರಿಸ್ತನ
ಪುನರುತ್ಥಾನವನ್ನೇ ಉರಿತು – ಆತನು ಪಾಳದಲ್ಲಿ ಬಿಡಲ್ಪಡಲಿಲ್ಲವೆಂತಲೂ ಆತನ ಶರೀರವು
ಕೊಳೆಯುವ ಅವಸ್ಥೆಯನ್ನನು ಭವಿಸುವದಿಲ್ಲವೆಂತಲೂ ಹೇಳಿದನು. ೩೨ ಈ ಯೇಸುವನ್ನೇ
ದೇವರು ಎಬ್ಬಿಸಿದನು; ಇದಕ್ಕೆ ನಾವೆಲ್ಲರು ಸಾಕ್ಷಿಗಳಾಗಿದ್ದೇವೆ. ೩೩ ಆತನು ದೇವರ ಬಲಗೈಯಿಂದ
ಉನ್ನತಸ್ಥಾನಕ್ಕೆ ಏರಿಸಲ್ಪಟ್ಟು ವಾಗ್ದಾನವಾಗಿದ್ದ ಪವಿತ್ರಾತ್ಮವರವನ್ನು ತಂದೆಯಿಂದ ಹೊಂದಿ ನೀವು
ನೋಡಿ ಕೇಳುವದನ್ನು ಸುರಿಸಿದ್ದಾನೆ. ೩೪ - ೩೫ ದಾವೀದನು ಆಕಾಶಕ್ಕೆ ಏರಿಹೋಗಲಿಲ್ಲವಲ್ಲಾ.
ತಾನೇ ಹೇಳುವ ಮಾತೇನಂದರೆ –

ನಾನು ನಿನ್ನ ವಿರೋಧಿಗಳನ್ನು ನಿನ್ನ ಪಾದಗಳಿಗೆ ಪೀಠವಾಗ ಮಾಡುವ ತನಕ
ನನ್ನ ಬಲಗಡೆಯಲ್ಲಿ ಕೂತುಕೊಂಡಿರು ಎಂದು ಕರ್ತನು ನನ್ನ ಒಡೆಯನಿಗೆ ನುಡಿದನು ಎಂಬದೇ.

೩೬ ಆದದರಿಂದ ನೀವು ಶಿಲುಬೆಗೆ ಹಾಕಿಸಿದ ಈ ಯೇಸುವನ್ನೇ ದೇವರು ಒಡಯನನ್ನಾಗಿಯೂ
ಕ್ರಿಸ್ತನನ್ನಾಗಿಯೂ ಮಾಡಿದ್ದಾನೆಂಬದು ಇಸ್ರಾಯೇಲ್ ಕುಲದವರಿಗೆಲ್ಲಾ ನಿಸ್ಸಂದೇಹವಾಗಿ
ತಿಳಿದಿರಲಿ ಎಂದು ಹೇಳಿದನು.

೩೭ ಇದನ್ನು ಅವರು ಕೇಳಿ ಹೃದಯದಲ್ಲಿ ಅಲಗುನೆಟ್ಟಂತಾಗಿ ಪೇತ್ರನನ್ನೂ ಉಳಿದ
ಅಪೊಸ್ತಲರನ್ನೂ – ಸಹೋದರರೇ, ನಾವೇನು ಮಾಡಬೇಕು ಎಂದು ಕೇಳಲು ೩೮ ಪೇತ್ರನು
ಅವರಿಗೆ – ನಿಮ್ಮ ಪಾಪಗಳು ಪರಿಹಾರವಾಗುವದಕ್ಕಾಗಿ ನಿಮ್ಮಲ್ಲಿ ಪ್ರತಿಯೊಬ್ಬರು ದೇವರ
ಕಡೆಗೆ ತಿರುಗಿಕೊಂಡು ಯೇಸು ಕ್ರಿಸ್ತನ ಹೆಸರಿನ ಮೇಲೆ ದೀಕ್ಷಾಸ್ನಾನಮಾಡಿಸಿಕೊಳ್ಳಿರಿ,
ಆಗ ನೀವು ಪವಿತ್ರಾತ್ಮದಾನವನ್ನು ಹೊಂದುವಿರಿ; ೩೯ ಆ ವಾಗ್ದಾನವು ನಿಮಗೂ ನಿಮ್ಮ
ಮಕ್ಕಳಿಗೂ ದೂರವಾಗಿರುವವರೆಲ್ಲರಿಗೂ ಅಂತೂ ನಮ್ಮ ದೇವರಾಗಿರುವ ಕರ್ತನು ತನ್ನ
ಕಡೆಗೆ ಕರೆಯುವವರೆಲ್ಲರಿಗೆ ಮಾಡೋಣವಾಗಿದೆ ಎಂದು ಹೇಳಿದನು. ೪೦ ಬೇರೆ

ಅನೇಕವಾದ ಮಾತುಗಳಿಂದ ಅವನು ಖಂಡಿತವಾಗಿ ಸಾಕ್ಷಿನುಡಿದು – ವಕ್ರಬುದ್ಧಿಯುಳ್ಳ ಈ
ಸಂತತಿಯವರಿಂದ ತಪ್ಪಿಸಿಕೊಳ್ಳಿರ ಎಂದು ಅವರನ್ನು ಎಚ್ಚರಿಸಿದನು. ೪೧ ಅವನ ಮಾತಿಗೆ
ಒಪ್ಪಿಕೊಂಡವರು ದೀಕ್ಷಾಸ್ನಾನಮಾಡಿಸಿ ಕೊಂಡರು. ಈ ದಿವಸ ಸುಮಾರು ಮೂರು ಸಾವಿರ
ಜನರು ಅವರಲ್ಲಿ ಸೇರಿದರು. ೪೨ ಇವರು ಅಪೊಸ್ತಲರ ಬೋಧನೆಯನ್ನು ಕೇಳುವದರಲ್ಲಿಯೂ
ಸಹೋದರರ ಅನ್ಯೋನ್ಯತೆಯಲ್ಲಿಯೂ ರೊಟ್ಟಿಮುರಿಯುವದರಲ್ಲಿಯೂ ಪ್ರಾರ್ಥನೆಗಳಲ್ಲಿಯೂ
ನಿರತರಾಗಿದ್ದರು.
೪೩ ಎಲ್ಲರಿಗೂ ಭಯ ಉಂಟಾಯಿತು; ಇದಲ್ಲದೆ ಅನೇಕ ಅದ್ಭುತಕಾರ್ಯಗಳೂ
ಸೂಚಕಕಾರ್ಯಗಳೂ ಅಪೊಸ್ತಲರ ಕೈಯಿಂದ ನಡೆದವು. ೪೪ ನಂಬಿದವರೆಲ್ಲರು ಒಗ್ಗಟ್ಟಾಗಿದ್ದು
ತಮ್ಮದೆಲ್ಲವನ್ನೂ ಹುದುವಾಗಿ ಅನುಭೋಗಿಸುತ್ತಾ ೪೫ ತಮ್ಮತಮ್ಮ ಚರಸ್ಥಿರಸೊತ್ತುಗಳನ್ನು ಮಾರಿ
ಬಂದ ಹಣವನ್ನು ಎಲ್ಲರಿಗೂ ಅವರವರ ಅಗತ್ಯವಿದ್ದ ಹಾಗೆ ಹಂಚಿಕೊಡುತ್ತಾ ಇದ್ದರು. ೪೬ ಅವರು
ದಿನಾಲು ಏಕಮನಸ್ಸಿನಿಂದ ದೇವಾಲಯದಲ್ಲಿ ಕೂಡುತ್ತಾ ಮನೆ ಮನೆಗಳಲ್ಲಿ ರೊಟ್ಟಿಮುರಿದು
ಉಲ್ಲಾಸದಿಂದಲೂ ಸರಲ ಹೃದಯದಿಂದಲೂ ಊಟಮಾಡುತ್ತಾ ಇದ್ದರು; ೪೭ ದೇವರನ್ನು
ಕೊಂಡಾಡುವವರಾಗಿಯೂ ಜನರೆಲ್ಲರ ದಯವನ್ನು ಹೊಂದುವವರಾಗಿಯೂ ಇದ್ದರು. ಕರ್ತನು
ರಕ್ಷಣೆಯ ಮಾರ್ಗದಲ್ಲಿರುವವರನ್ನು ದಿನಾಲು ಅವರ ಮಂಡಲಿಗೆ ಸೇರಿಸುತ್ತಿದ್ದನು.

### ಹುಟ್ಟುಕುಂಟನು ಪೇತ್ರನ ಮೂಲಕ ನಡೆಯುವ ಶಕ್ತಿಯನ್ನು ಹೊಂದಿದ್ದು. ಪೇತ್ರನು ಯೇಸುವಿನ ಮಹಿಮೆಯ ವಿಷಯದಲ್ಲಿ ಉಪನ್ಯಾಸಮಾಡಿದ್ದು

೩ ೧ ಒಂದಾನೊಂದು ದಿವಸ ಪೇತ್ರ ಯೋಹಾನರು ಮಧ್ಯಾಹ್ನದ ಮೇಲೆ ಮೂರು ಘಂಟೆಗೆ
ನಡೆಯತಕ್ಕ ಪ್ರಾರ್ಥನೆಗಾಗಿ ದೇವಾಲಯಕ್ಕೆ ಹೋಗುತ್ತಿರಲು ಹುಟ್ಟು ೨ ಕುಂಟನಾಗಿದ್ದ ಒಬ್ಬ
ಮನುಷ್ಯನನ್ನು ಯಾರೋ ಹೊತ್ತುಕೊಂಡು ಬಂದರು. ದೇವಾಲಯದೊಳಕ್ಕೆ ಹೋಗುವವರಿಂದ
ಭಿಕ್ಷಬೇಡುವದಕ್ಕಾಗಿ ಅವನನ್ನು ದೇವಾಲಯದ ಸುಂದರದ್ವಾರವೆಂಬ ಬಾಗಿಲಿನಲ್ಲಿ ದಿನಾಲು
ಕೂಡ್ರಿಸುತ್ತಿದ್ದರು. ೩ ಅವನು ದೇವಾಲಯದೊಳಕ್ಕೆ ಹೋಗುತ್ತಿರುವ ಪೇತ್ರ ಯೋಹಾನರನ್ನು
ಕಂಡು ಭಿಕ್ಷಾ ಕೊಡಬೇಕು ಎಂದು ಕೇಳಲು ೪ ಪೇತ್ರ ಯೋಹಾನರಿಬ್ಬರೂ ಅವನನ್ನು ದೃಷ್ಟಿಸಿ
ನೋಡಿದರು. ಪೇತ್ರನು – ನಮ್ಮನ್ನು ನೋಡು ಅಂದನು. ೫ ಅವನು ಅವರಿಂದ ಏನಾದರೂ
ದೊರಕೀತೆಂದು ನಿರೀಕ್ಷಿಸಿ ಅವರನ್ನು ಲಕ್ಷ್ಯವಿಟ್ಟು ನೋಡಿದನು. ೬ ಆಗ ಪೇತ್ರನು – ಬೆಳ್ಳಿ
ಭಂಗಾರವಂತೂ ನನ್ನಲ್ಲಿಲ್ಲ, ನನ್ನಲ್ಲಿರುವದನ್ನು ನಿನಗೆ ಕೊಡುತ್ತೇನೆ. ನಜರೇತಿನ ಯೇಸುಕ್ರಿಸ್ತನ
ಹೆಸರಿನಲ್ಲೇ ಎದ್ದು ನಡೆದಾಡು ಎಂದು ಹೇಳಿ ೭ ಅವನನ್ನು ಬಲಗೈಹಿಡಿದು ಎತ್ತಿದನು. ಆ
ಕ್ಷಣವೇ ಅವನ ಕಾಲುಗಳಿಗೂ ಹರಡುಗಳಿಗೂ ಬಲಬಂತು; ೮ ಅವನು ಹಾರಿನಿಂತು ನಡೆದಾಡಿದನು;
ನಡೆಯುತ್ತಾ ಹಾರುತ್ತಾ ದೇವರನ್ನು ಕೊಂಡಾಡುತ್ತಾ ಅವರ ಜೊತೆಯಲ್ಲಿ ದೇವಾಲಯದೊಳಗೆ
ಹೋದನು. ೯ ಅವನು ನಡೆಯುತ್ತಾ ದೇವರನ್ನು ಕೊಂಡಾಡುತ್ತಾ ಇರುವದನ್ನು ಜನರೆಲ್ಲರು ನೋಡಿ
೧೦ ಇವನು ದೇವಾಲಯದ ಸುಂದರ ದ್ವಾರವೆಂಬ ಬಾಗಿಲಿನಲ್ಲಿ ಕೂತು ಭಿಕ್ಷಾಬೇಡುತ್ತಿದ್ದವನೆಂದು
ಗುರುತುಹಿಡಿದು ಅವನಿಗೆ ಸಂಭವಿಸಿದ್ದಕ್ಕೆ ವಿಸ್ಮಯಹಿಡಿದವರಾಗಿ ಬಹಳ ಬೆರಗಾದರು.
೧೧ ಅವನು ಪೇತ್ರ ಯೋಹಾನರನ್ನು ಹಿಡುಕೊಂಡೇ ಇರುವಾಗ ಆಶ್ಚರ್ಯಪಡುತ್ತಿರುವ ಆ
ಜನರೆಲ್ಲರು ಅವರ ಬಳಿಗೆ ಸೊಲೋಮೋನನದೆಂಬ ಹೆಸರುಳ್ಳ ಮಂಟಪಕ್ಕೆ ಗುಂಪುಗುಂಪಾಗಿ
ಓಡಿಬಂದರು. ೧೨ ಪೇತ್ರನು ಇದನ್ನು ನೋಡಿ ಜನರಿಗೆ – ಇಸ್ರಾಯೇಲ್ ಉನರೇ, ನೀವು ಯಾಕೆ
ಇದಕ್ಕೆ ಆಶ್ಚರ್ಯಪಡುತ್ತೀರಿ? ನೀವು ನಮ್ಮ ಮೇಲೆ ದೃಷ್ಟಿಯಿಟ್ಟು ನೋಡುವದೇನು? ನಾವು
ಸ್ವಂತ ಶಕ್ತಿಯಿಂದಾಗಲಿ ದೇವಭಕ್ತಿಯಿಂದಾಗಲಿ ಇವನನ್ನು ನಡೆಯುವಂತೆ ಮಾಡಿದೆವೆಂದು
ಭಾವಿಸಬೇಡಿರಿ. ೧೩ ನಮ್ಮ ಪಿತೃಗಳಾದ ಅಬ್ರಹಾಮ ಇಸಾಕ ಯಾಕೋಬರ ದೇವರು ತನ್ನ
ಸೇವಕನಾದ ಯೇಸುವನ್ನು ಮಹಿಮೆಪಡಿಸಿದ್ದಾನೆ. ನೀವಂತೂ ಆತನನ್ನು ಹಿಡಿದುಕೊಟ್ಟಿರಿ;
ಮತ್ತು ಪಿಲಾತನು ಆತನನ್ನು ಬಿಡಿಸಬೇಕೆಂದು ನಿರ್ಣಯಿಸಿದಾಗ ಆತನನ್ನು ಬೇಡವೆಂದಿರಿ.
೧೪ ನೀವು ಪರಿಶುದ್ಧನೂ ನೀತಿವಂತನೂ ಆಗಿರುವ ಪುರುಷನನ್ನು ಬೇಡವೆಂದು ಹೇಳಿ
ಕೊಲೆಗಾರನಾದ ಮನುಷ್ಯನನ್ನು ಬಿಡಿಸಿಕೊಡಬೇಕೆಂದು ಬೇಡಿಕೊಂಡು ಜೀವನಾಯಕನನ್ನು
ಕೊಲ್ಲಿಸಿದಿರಿ. ೧೫ ಆದರೆ ದೇವರು ಆತನನ್ನು ಸತ್ತವರೊಳಗಿಂದ ಎಬಬಿಸಿದನು; ಈ
ವಿಷಯದಲ್ಲಿ ನಾವೇ ಸಾಕ್ಷಿಗಳು. ೧೬ ನೀವು ನೋಡುವಂಥ ನಿಮಗೆ ಗುರುತಿರುವಂಥ ಈ
ಮನುಷ್ಯನು ನೆಟ್ಟಗಾದದ್ದಕ್ಕೆ ಆತನ ಹೆಸರಿನಲ್ಲಿ ಇಟ್ಟ ನಂಬಿಕೆಯೇ ಕಾರಣ; ಆ ಹೆಸರೇ ಇವನನ್ನು

ಬಲಪಡಿಸಿತು. ಆತನ ಮೂಲಕ ಉಂಟಾಗಿರುವ ನಂಬಿಕೆಯೇ ಇವನಿಗೆ ನಿಮ್ಮೆಲ್ಲರ ಮುಂದೆ
ಪೂರ್ಣಕ್ಷೇಮವನ್ನು ಕೊಟ್ಟಿತು.
೧೭ ಸಹೋದರರೇ, ಅದಿರಲಿ, ನೀವು ಆ ಕಾರ್ಯವನ್ನು ತಿಳಿಯದೆ ಮಾಡಿದಿರೆಂದು ಬಲ್ಲೆನು;
ನಿಮ್ಮ ಅಧಿಕಾರಿಗಳೂ ತಿಳಿಯದೆ ಮಾಡಿದರು. ೧೮ ಆದರೆ ದೇವರು ತನು ನೇಮಿಸಿದ ಕ್ರಿಸ್ತನು
ಬಾಧೆಯನ್ನನುಭವಿಸಿ ಸಾಯಬೇಕೆಂಬದಾಗಿ ಎಲ್ಲಾ ಪ್ರವಾದಿಗಳ ಬಾಯಿಂದ ಮುಂಚಿತವಾಗಿ
ಹೇಳಿಸಿದ ಮಾತನ್ನು ಹೀಗೆ ನೆರವೇರಿಸಿದನು. ೧೯ ಆದದರಿಂದ ದೇವರು ನಿಮ್ಮ ಪಾಪಗಳನ್ನು
ಅಳಿಸಿಬಿಡುವ ಹಾಗೆ ನೀವು ಪಶ್ಚಾತ್ತಾಪಪಟ್ಟು ಆತನ ಕಡೆಗೆ ತಿರುಗಿಕೊಳ್ಳಿರಿ. ತಿರುಗಿದರೆ
ದೇವರ ಸನ್ನಿಧಾನದಿಂದ ೨೦ ವಿಶ್ರಾಂತಿಕಾಲಗಳು ಒದಗಿ ಆತನು ನಿಮಗೆ ನೇಮಕವಾಗಿರುವ
ಕ್ರಿಸ್ತನಾದ ಯೇಸುವನ್ನು ಕಳುಹಿಸಿಕೊಡುವನು. ೨೧ ಆದರೆ ಸಮಸ್ತವನ್ನು ಸರಿಮಾಡುವ ಕಾಲವು
ಬರುವ ತನಕ ಪರಲೋಕವೇ ಆ ಕ್ರಿಸ್ತನ ಸ್ಥಾನವಾಗಿರಬೇಕು. ಆ ಕಾಲದ ವಿಷಯವಾಗಿ ದೇವರು
ಪೂರ್ವದಲ್ಲಿದ್ದ ತನ್ನ ಪರಿಶುದ್ಧ ಪ್ರವಾದಿಗಳ ಬಾಯಿಂದ ಹೇಳಿಸಿದ್ದಾನೆ. ೨೨ ಮೋಶೆಯು
ಹೇಳಿದ್ದೇನಂದರೆ – ದೇವರಾಗಿರುವ ಕರ್ತನು ನನ್ನನ್ನು ಏರ್ಪಡಿಸಿದಂತೆ ನಿಮ್ಮ ಸಹೋದರರಲ್ಲಿ
ಮತ್ತೊಬ್ಬ ಪ್ರವಾದಿಯನ್ನು ನಿಮಗೆ ಏರ್ಪಡಿಸಿಕೊಡುವನು, ಆತನು ನಿಮಗೆ ಹೇಳುವ ಎಲ್ಲಾ
ಮಾತುಗಳಿಗೆ ಕಿವಿಗೊಡಬೇಕು; ೨೩ ಆ ಪ್ರವಾದಿಯ ಮಾತನ್ನು ಕೇಳದಿರುವ ಪ್ರತಿಯೊಬ್ಬನು
ನಮ್ಮ ಜನರೊಳಗಿಂದ ಸಂಪೂರ್ಣವಾಗಿ ನಾಶವಾಗುವನು ಎಂಬದೇ. ೨೪ ಇದಲ್ಲದೆ ಸಮುವೇಲನೂ
ಅವನ ತರುವಾಯ ಬಂದು ಪ್ರವಾದಿಸಿದ ಎಲ್ಲಾ ಪ್ರವಾದಿಗಳೂ ಸಹ ಈಗಿನ ದಿನಗಳ ವಿಷಯದಲ್ಲಿ
ತಿಳಿಸಿದರು. ೨೫ ನೀವು ಪ್ರವಾದಿಗಳ ಶಿಷ್ಯರೂ ದೇವರು ನಮ್ಮ ಪಿತೃಗಳ ಸಂಗಡ ಮಾಡಿಕೊಂಡ
ಒಡಂಬಡಿಕೆಗೆ ಬಾಧ್ಯರೂ ಆಗಿದ್ದೀರಿ. ಆತನು ಅಬ್ರಹಾಮನಿಗೆ – ನಿನ್ನ ಸಂತತಿಯ
ಮೂಲಕ ಭೂಲೋಕದ ಎಲ್ಲಾ ಕುಲದವರಿಗೂ ಆಶೀರ್ವಾದವುಂಟಾಗುವದು ಎಂದು ಹೇಳಿ
ಆ ಒಡಂಬಡಿಕೆಯನ್ನು ಮಾಡಿಕೊಂಡನಲ್ಲಾ. ೨೬ ಮೊದಲು ನಿಮಗಾಗಿಯೇ ದೇವರು ತನ್ನ
ಸೇವಕನನ್ನು ಏರ್ಪಡಿಸಿ ಈತನು ನಿಮ್ಮಲ್ಲಿ ಪ್ರತಿಯೊಬ್ಬನನ್ನು ಅವನವನ ಕೆಟ್ಟ ನಡತೆಗಳಿಂದ
ತಿರುಗಿಸಿ ನಿಮ್ಮನ್ನು ಆಶೀರ್ವದಿಸಬೇಕೆಂದು ಆತನನ್ನು ಕಳುಹಿಸಿಕೊಟ್ಟಿದ್ದಾನೆ ಎಂದು
ಹೇಳಿದನು.

### ಯೆಹೂದ್ಯರ ಅಧಿಕಾರಿಗಳು ಪೇತ್ರ ಯೋಹಾನರನ್ನು ಹಿಡಿಸಿ ಯೇಸುವಿನ ಹೆಸರನ್ನು ಎತ್ತಬಾರದೆಂದು ಆಜ್ಞೆ ಮಾಡಲು ಅವರು ಧೈರ್ಯವಾಗಿ ಉತ್ತರಕೊಟ್ಟದ್ದು

೪ ೧ ಅಪೊಸ್ತಲರು ಜನರಿಗೆ ಉಪದೇಶಮಾಡುತ್ತಾ ಸತ್ತವರು ಜೀವಿತರಾಗಿ ಏಳುವರು
೨ ಎಂಬದನ್ನು ಯೇಸುವಿನ ದೃಷ್ಟಾಂತದಿಂದ ಸಾರುತ್ತಾ ಇದ್ದದ್ದಕ್ಕೆ ಯಾಜಕರೂ
ದೇವಾಲಯದ ಅಧಿಪತಿಯೂ ಸದ್ದುಕಾಯರೂ ಅಸಮಾಧಾನಪಟ್ಟು ಅಪೊಸ್ತಲರು ಜನರ ಸಂಗಡ
ಮಾತಾಡುತ್ತಿರುವಾಗಲೇ ಬಂದು ೩ ಅವರನ್ನು ಹಿಡಿದು ಆಗಲೇ ಸಾಯಂಕಾಲವಾದ್ದದರಿಂದ
ಮರುದಿನದ ವರೆಗೆ ಕಾವಲಲ್ಲಿಟ್ಟರು. ೪ ಆದರೆ ವಾಕ್ಯವನ್ನು ಕೇಳಿದವರಲ್ಲಿ ಅನೇಕರು ನಂಬಿದರು;
ಗಂಡಸರ ಸಂಖ್ಯೆ ಸುಮಾರು ಐದು ಸಾವಿರ ತನಕ ಬೆಳೆಯಿತು.
೫ ಮರುದಿನ ಯೆಹೂದ್ಯರ ಅಧಿಕಾರಿಗಳೂ ಹಿರಿಯರೂ ಶಾಸ್ತ್ರಿಗಳೂ ಯೆರೂಸಲೇಮಿನಲ್ಲಿ
ಕೂಡಿಬಂದರು. ೬ ಅನ್ನನೆಂಬ ಮಹಾಯಾಜಕನೂ ಕಾಯಫನೂ ಯೋಹಾನನೂ ಅಲೆಕ್ಸಾಂದ್ರನೂ
ಮಹಾಯಾಜಕನ ಸಂಬಂಧಿಗಳೆಲ್ಲರೂ ಇದ್ದರು. ೭ ಇವರು ಪೇತ್ರ ಯೋಹಾನರನ್ನು ನಡುವೆ
ನಿಲ್ಲಿಸಿ – ನೀವು ಎಂಥಾ ಶಕ್ತಿಯಿಂದ ಇಲ್ಲವೆ ಎಂಥಾ ಹೆಸರಿನಿಂದ ಇದನ್ನು ಮಾಡಿದಿರಿ ಎಂದು
ಕೇಳಲು ಪೇತ್ರನು ಪವಿತ್ರಾತ್ಮಭರಿತನಾಗಿ ೮ ಅವರಿಗೆ – ಜನರ ಅಧಿಕಾರಿಗಳೇ, ಹಿರಿಯರೇ,
೯ ಒಬ್ಬ ಅಂಗಹೀನನಿಗೆ ಆದ ಉಪಕಾರದ ವಿಷಯದಲ್ಲಿ ಅವನಿಗೆ ಯಾತರಿಂದ ನೆಟ್ಟಗಾಯಿತು
ಎಂಬದಾಗಿ ನಮ್ಮನ್ನು ಈ ಹೊತ್ತು ವಿಚಾರಣೆಮಾಡುವದಾದರೆ ೧೦ ನಿಮ್ಮೆಲ್ಲರಿಗೂ ಇಸ್ರಾಯೇಲ್
ಜನರೆಲ್ಲರಿಗೂ ತಿಳಿಯಬೇಕಾದದ್ದೇನಂದರೆ — ನೀವು ಶಿಲುಬೆಗೆ ಹಾಕಿಸಿದಂಥ ಮತ್ತು
ದೇವರು ಸತ್ತವರೊಳಗಿಂದ ಎಬ್ಬಿಸಿದಂಥ ನಜರೇತಿನ ಯೇಸು ಕ್ರಿಸ್ತನ ಹೆಸರಿನಿಂದಲೇ
ಈ ಮನುಷ್ಯನು ನಿಮ್ಮೆದುರಿನಲ್ಲಿ ಸ್ವಸ್ಥನಾಗಿ ನಿಂತಿರುತ್ತಾನೆ. ೧೧ ಮನೆಕಟ್ಟುವವರಾದ
ನೀವು ಹೀನೈಸಿದ ಕಲ್ಲು ಆತನು; ಆತನೇ ಮುಖ್ಯವಾದ ಮೂಲೆಗಲ್ಲಾದನು. ೧೨ ಬರಬೇಕಾದ
ರಕ್ಷಣೆಯು ಇನ್ನಾರಲ್ಲಿಯೂ ಸಿಕ್ಕಿಉವದಿಲ್ಲ; ಆ ಹೆಸರಿನಿಂದಲೇ ಹೊರತು ಆಕಾಶದ ಕೆಳಗೆ
ಮನುಷ್ಯರೊಳಗೆ ಕೊಡಲ್ಪಟ್ಟಿರುವ ಬೇರೆ ಯಾವ ಹೆಸರಿನಿಂದಲೂ ನಮಗೆ ರಕ್ಷಣೆಯಾಗುವದಿಲ್ಲ
ಎಂದು ಹೇಳಿದನು.

೧೩ ಪೇತ್ರ ಯೋಹಾನರು ಧೈರ್ಯದಿಂದ ಮಾತಾಡುವದನ್ನು ಆ ಸಭಿಕರು ನೋಡಿ ಅವರು
ಶಾಸ್ತ್ರಭ್ಯಾಸಮಾಡದ ಸಾಧಾರಣರೆಂದು ತಿಳಿದು ಆಶ್ಚರ್ಯಪಟ್ಟರು, ೧೪ ಇವರು ಯೇಸುವಿನ
ಸಂಗಡ ಇದ್ದವರೆಂದು ಗುರುತು ಹಿಡಿದರು; ಮತ್ತುಕ್ಷೇಮಹೊಂದಿದ ಆ ಮನುಷ್ಯನು ಅವರ
ಕೂಡ ನಿಂತಿರುವದನ್ನು ನೋಡಿ ಪ್ರತಿಯಾಗಿ ಏನೂ ಮಾತಾಡಲಾರದೆ ಇದ್ದರು. ೧೫ ಆ ಮೇಲೆ
ಸಭೆಯಿಂದ ಸ್ವಲ್ಪ ಹೊರಗೆ ಹೋಗಿರೆಂದು ಅವರಿಗೆ ಅಪ್ಪಣೆ ಕೊಟ್ಟು – ಈ ಮನುಷ್ಯರಿಗೆ
೧೬ ನಾವೇನು ಮಾಡೋಣ? ಪ್ರಸಿದ್ಧವಾದ ಒಂದು ಸೂಚಕಕಾರ್ಯವು ಇವರ ಮೂಲಕವಾಗಿ
ನಡೆಯಿತೆಂಬದು ಯೆರೂಸಲೇಮಿನಲ್ಲಿ ವಾಸಮಾಡುವವರೆಲ್ಲರಿಗೂ ಗೊತ್ತಾಗಿದೆಯಷ್ಟೆ;
ಅದು ಆಗಲಿಲ್ಲವೆನ್ನುವದಕ್ಕಾಗದು. ೧೭ ಆದರೆ ಇದು ಜನರಲ್ಲಿ ಇನ್ನೂ ಹಬ್ಬದಂತೆ ಮುಂದೆ ಆ
ಹೆಸರನ್ನು ಎತ್ತಿ ಯಾರ ಸಂಗಡಲೂ ಮಾತಾಡಬಾರದೆಂದು ಅವರನ್ನು ಬೆದರಿಸೋಣ ಎಂಬದಾಗಿ
ಒಬ್ಬರ ಕೂಡೊಬ್ಬರು ಆಲೋಚನೆ ಮಾಡಿಕೊಂಡು ೧೮ ಅವರನ್ನು ಕರೆಯಿಸಿ – ಆ ಯೇಸುವಿನ
ಹೆಸರನ್ನು ಎತ್ತಿ ಹೇಗೂ ಮಾತಾಡಬಾರದು, ಉಪದೇಶ ಮಾಡಲು ಬಾರದು ಎಂದು ಅವರಿಗೆ
ಖಂಡಿತವಾಗಿ ಅಪ್ಪಣೆಕೊಟ್ಟರು. ೧೯ ಅದಕ್ಕೆ ಪೇತ್ರ ಯೋಹಾನರು ಅವರಿಗೆ – ದೇವರ ಮಾತನ್ನು
ಕೇಳುವದಕ್ಕಿಂತಲೂ ನಿಮ್ಮ ಮಾತನ್ನು ಕೇಳುವದು ದೇವರ ಮುಂದೆ ನ್ಯಾಯವೋ ಏನು? ನೀವೇ
ತೀರ್ಪು ಮಾಡಿಕೊಳ್ಳಿರಿ; ೨೦ ನಾವಂತೂ ಕಂಡು ಕೇಳಿದ್ದನ್ನು ಹೇಳದೆ ಇರಲಾರೆವು ಎಂದು
ಉತ್ತರಕೊಟ್ಟರು. ೨೧ ನಡೆದಿದ್ದ ಕಾರ್ಯಕ್ಕೋಸ್ಕರ ಜನರೆಲ್ಲರು ದೇವರನ್ನು ಕೊಂಡಾಡುತ್ತಾ ಇದ್ದ
ಕಾರಣ ಅವರ ದೆಸೆಯಿಂದ ಸಭಿಕರು ಅಪೊಸ್ತಲರನ್ನು ದಂಡಿಸತಕ್ಕ ಉಪಾಯವನ್ನು ಕಾಣದೆ
ಅವರನ್ನು ಇನ್ನಷ್ಟು ಬೆದರಿಸಿ ಬಿಟ್ಟು ಬಿಟ್ಟರು. ೨೨ ಈ ಸೂಚಕಕಾರ್ಯದಿಂದ ಸ್ವಸ್ಥತೆಹೊಂದಿದ ಆ
ಮನುಷ್ಯನಿಗೆ ನಾಲ್ವತ್ತು ವರುಷಕ್ಕಿಂತ ಹೆಚ್ಚು ವಯಸ್ಸಾಗಿತ್ತು.
೨೩ ಇವರು ಬಿಡುಗಡೆ ಹೊಂದಿ ಸ್ವಂತ ಜನರ ಬಳಿಗೆ ಹೋಗಿ ಮಹಾಯಾಜಕರೂಹಿರಿಯರೂ
ತಮಗೆ ಹೇಳಿದ ಮಾತುಗಳನ್ನೆಲ್ಲಾ ತಿಳಿಸಿದರು. ೨೪ ಅವರು ಕೇಳಿ ಏಕಮನಸ್ಸಾಗಿ ದೇವರನ್ನು
ಘಟ್ಟಿಯಾದ ಧ್ವನಿಯಿಂದ ಹೇಗೆ ಪ್ರಾರ್ಥಿಸಿದರು – ಒಡೆಯನೇ, ಭೂಮ್ಯಾಕಾಶಗಳನ್ನೂ
ಸಮುದ್ರವನ್ನೂ ಅವುಗಳಲ್ಲಿರುವ ಸಮಸ್ತವನ್ನೂ ಉಂಟುಮಾಡಿದಾತನೇ, ೨೫ ನೀನು ಪವಿತ್ರಾತ್ಮ
ಮೂಲಕವಾಗಿ ನಿನ್ನ ಸೇವಕನಾಗಿದ್ದ ನಮ್ಮ ಪಿತೃವಾದ ದಾವೀದನ ಬಾಯಿಂದ–
ಅನ್ಯಜನಗಳು ಯಾಕೆ ರೇಗಿದರು?
ಜನಾಂಗಗಳವರು ವ್ಯರ್ಥಕಾರ್ಯಗಳನ್ನು ಯಾಕೆ ಯೋಚಿಸಿದರು?
೨೬ ಕರ್ತನಿಗೂ ಆತನು ಅಭಿಷೇಕಿಸಿದವನಿಗೂ ವಿರೋಧವಾಗಿ
ಭೂಪತಿಗಳು ಸನ್ನದ್ಧರಾಗಿ ನಿಂತರು,
ಅಧಿಕಾರಿಗಳು ಏಕವಾಗಿ ಕೂಡಿಕೊಂಡರು.
ಎಂದು ಹೇಳಿಸಿದಿಯಲ್ಲವೇ. ೨೭ ಆ ಮಾತಿಗೆ ಅನುಸಾರವಾಗಿಯೇ ಈ ಪಟ್ಟಣದಲ್ಲಿ
ಹೆರೋದನೂ ಪೊಂತ್ಯ ಪಿಲಾತನೂ ನೀನು ಅಭಿಷೇಕಿಸಿದ ನಿನ್ನ ಪವಿತ್ರ ಸೇವಕನಾದ
ಯೇಸುವಿಗೆ ವಿರೋಧವಾಗಿ ಅನ್ಯಜನರ ಮತ್ತು ಇಸ್ರಾಯೇಲ್ ಜನರ ಸಹಿತವಾಗಿ ಕೂಡಿಕೊಂಡು
೨೮ ನಿನ್ನ ಕೈಯೂ ನಿನ್ನ ಸಂಕಲ್ಪವೂ ಮೊದಲು ನೇಮಿಸಿದ್ದನ್ನೇ ನಡಿಸಿದರು. ೨೯ - ೩೦ ಕರ್ತನೇ,
ಈಗ ನೀನು ಅವರ ಬೆದರಿಸುವಿಕೆಗಳನ್ನು ನೋಡಿ ನಿನ್ನ ಪವಿತ್ರ ಸೇವಕನಾದ ಯೇಸುವಿನ
ಹೆಸರಿನ ಮೂಲಕವಾಗಿ ರೋಗ ಪರಿಹಾರವೂ ಸೂಚಕಕಾರ್ಯಗಳೂ ಅದ್ಭುತಕಾರ್ಯಗಳೂ
ಉಂಟಾಗುವಂತೆ ನಿನ್ನ ಕೈಚಾಚುತ್ತಿರುವಲ್ಲಿ ನಿನ್ನ ದಾಸರು ನಿನ್ನ ವಾಕ್ಯವನ್ನು ಧೈರ್ಯದಿಂದ
ಹೇಳುವ ಹಾಗೆ ಅನುಗ್ರಹಿಸು ಅಂದರು. ೩೧ ಹೀಗೆ ಪ್ರಾರ್ಥನೆ ಮಾಡಿದ ಮೇಲೆ ಅವರು ಕೂಡಿದ್ದ
ಸ್ಥಳವು ನಡುಗಿತು, ಅವರೆಲ್ಲರು ಪವಿತ್ರಾತ್ಮ ಭರಿತರಾಗಿ ದೇವರ ವಾಕ್ಯವನ್ನು ಧೈರ್ಯದಿಂದ
ಹೇಳುವವರಾದರು.

### ಶಿಷ್ಯರಲ್ಲಿ ಅನೇಕರು ತಮ್ಮ ಆಸ್ತಯನ್ನು ಮಾರಿ ಬಂದ ಹಣವನ್ನು ಹುದುವಾಗಿ ಅನುಭೋಗಿಸುವದಕ್ಕೆ ಕೊಡಲು ಅನನೀಯನೂ ಸಪ್ಫೈರಳೂ ಮೋಸಮಾಡಿ ಸತ್ತದ್ದು

೩೨ ನಂಬಿದ್ದ ಮಂಡಲಿಯವರ ಹೃದಯವೂ ಪ್ರಾಣವೂ ಒಂದೇ ಆಗಿತ್ತು. ಇದಲ್ಲದೆ ಒಬ್ಬನಾದರೂ
ತನಗಿದ್ದ ಆಸ್ತಿಯಲ್ಲಿ ಯಾವದೊಂದನ್ನೂ ಸ್ವಂತವಾದದ್ದೆಂದು ಹೇಳಲಿಲ್ಲ. ಎಲ್ಲವೂ ಅವರಿಗೆ
ಹುದುವಾಗಿ ಇತ್ತು. ೩೩ ಮತ್ತು ಕರ್ತನಾದ ಯೇಸು ಜೀವಂತನಾಗಿ ಎದ್ದು ಬಂದನೆಂಬದಕ್ಕೆ
ಅಪೊಸ್ತಲರು ಬಹು ಬಲವಾಗಿ ಸಾಕ್ಷಿ ಹೇಳುತ್ತಿದ್ದರು. ಬಹಳ ದಯವು ಅವರೆಲ್ಲರ ಮೇಲೆ ಇತ್ತು.
೩೪ ಅವರಲ್ಲಿ ಕೊರತೆಪಡುವವನು ಒಬ್ಬನೂ ಇರಲಿಲ್ಲ, ಯಾಕಂದರೆ ಹೊಲಮನೆಗಳಿದ್ದವರು

ಅವುಗಳನ್ನು ಮಾರಿ ಬಂದ ಕ್ರಯವನ್ನು ತಂದು ೩೫ ಅಪೊಸ್ತಲರ ಪಾದಗಳ ಬಳಿಯಲ್ಲಿ ಇಡುತ್ತಿದ್ದರು;
ಅದನ್ನು ಪ್ರತಿಯೊಬ್ಬನಿಗೆ ಅವನವನ ಅವಶ್ಯದಂತೆ ಹಂಚಿ ಕೊಡುತ್ತಿದ್ದರು.
೩೬ ಈ ಪ್ರಕಾರ ಮಾಡಿದವರೊಳಗೆ ಕುಪ್ರದ್ವೀಪದಲ್ಲಿ ಹುಟ್ಟಿದ ಲೇವಿಯನಾಗಿದ್ದ
ಯೋಸೇಫನೆಂಬವನು ಒಬ್ಬನು. ಅವನಿಗೆ ಅಪೊಸ್ತಲರು ಬಾರ್ನಬ ಅಂದರೆ ಧೈರ್ಯದಾಯಕ
ಎಂದು ಹೆಸರಿಟ್ಟಿದ್ದರು. ೩೭ ಅವನು ತನಗಿದ್ದ ಭೂಮಿಯನ್ನು ಮಾರಿ ಬಂದ ಹಣವನ್ನು ತಂದು
ಅಪೊಸ್ತಲರ ಪಾದಗಳ ಬಳಿಯಲ್ಲಿ ಇಟ್ಟನು.

೫ ೧ ಅಂದರೆ ಅನನೀಯನೆಂಬ ಒಬ್ಬ ಮನುಷ್ಯನು ಸಪ್ಫೈರಳೆಂಬ ತನ್ನ ಹೆಂಡತಿಯ
ಒಪ್ಪಿಗೆಯಿಂದ ಒಂದು ಭೂಮಿಯನ್ನು ಮಾರಿ ೨ ಹೆಂಡತಿಯ ಸಮ್ಮತಿಯಿಂದ ಅದರ
ಕ್ರಯದಲ್ಲಿ ಒಂದು ಭಾಗವನ್ನು ಬಚ್ಚಿಟ್ಟುಕೊಂಡು ಒಂದು ಭಾಗವನ್ನು ತಂದು ಅಪೊಸ್ತಲರ
ಪಾದಗಳ ಬಳಿಯಲ್ಲಿ ಇಟ್ಟನು. ೩ ಆಗ ಪೇತ್ರನು – ಅನನೀಯಾ, ಸೈತಾನನು ನಿನ್ನ ಹೃದಯದಲ್ಲಿ
ತುಂಬಿಕೊಂಡದ್ದೇನು? ನೀನು ಯಾಕೆ ಆ ಹೊಲದ ಕ್ರಯದಲ್ಲಿ ಕೆಲವನ್ನು ಬಚ್ಚಿಟ್ಟುಕೊಂಡು
ಪವಿತ್ರಾತ್ಮನನ್ನು ವಂಚಿಸಬೇಕೆಂದಿದ್ದೀ? ೪ ಆ ಆಸ್ತಿ ಇದ್ದಾಗ ನಿನ್ನದಾಗಿಯೇ ಇತ್ತಲ್ಲವೇ. ಮಾರಿದ
ಮೇಲೆಯೂ ಬಂದ ಹಣವು ನಿನ್ನ ಅಧೀನದಲ್ಲೇ ಇತ್ತಲ್ಲವೇ, ನೀನು ಈ ಕಾರ್ಯವನ್ನು ನಿನ್ನ
ಹೃದಯದಲ್ಲಿ ಯೋಚಿಸಿಕೊಂಡದ್ದು ಯಾಕೆ? ನೀನು ಸುಳ್ಳಾಡಿದ್ದು ಮನುಷ್ಯರಿಗಲ್ಲ, ದೇವರಿಗೆ
ಆಡಿದಿ ಅಂದನು. ೫ ಈ ಮಾತುಗಳನ್ನು ಅನನೀಯನು ಕೇಳಿದ ಕೂಡಲೆ ಬಿದ್ದು ಪ್ರಾಣಬಿಟ್ಟನು;
ಕೇಳಿದವರೆಲ್ಲರಿಗೂ ಮಹಾ ಭಯ ಹಿಡಿಯಿತು. ೬ ಆಗ ಯೌವನಸ್ಥರು ಎದ್ದು ಅವನನ್ನು ವಸ್ತ್ರದಲ್ಲಿ
ಸುತ್ತಿ ಹೊತ್ತುಕೊಂಡು ಹೋಗಿ ಹೂಣಿಟ್ಟರು.
೭ ಸುಮಾರು ಮೂರು ಘಂಟೆ ಹೊತ್ತಿನ ಮೇಲೆ ಅವನ ಹೆಂಡತಿಯು ನಡೆದ ಸಂಗತಿಯನ್ನು
ತಿಳಿಯದೆ ಒಳಗೆ ಬಂದಳು. ೮ ಪೇತ್ರನು ಆಕೆಯನ್ನು ನೋಡಿ – ನೀವು ಆ ಹೊಲವನ್ನು
ಮಾರಿದ್ದು ಇಷ್ಟೇ ಹಣಕ್ಕೋ? ನನಗೆ ಹೇಳು ಎಂದು ಕೇಳಲು ಆಕೆಯು – ಹೌದು, ಇಷ್ಟಕ್ಕೇ
ಅಂದಳು. ೯ ಆಗ ಪೇತ್ರನು ಆಕೆಗೆ – ನೀವಿಬ್ಬರೂ ಕರ್ತನ ಆತ್ಮನನ್ನು ಪರೀಕ್ಷಿಸುವದಕ್ಕೆ ಯಾಕೆ
ಒಡಂಬಟ್ಟಿರಿ? ಅಗೋ, ನಿನ್ನ ಗಂಡನನ್ನು ಹೂಣಿಟ್ಟವರು ಬಂದು ಬಾಗಿಲಿನಲ್ಲಿ ಕಾಲಿಟ್ಟಿದ್ದಾರೆ,
ನಿನ್ನನ್ನೂ ಹೊತ್ತುಕೊಂಡು ಹೋಗುವರು ಎಂದು ಹೇಳಿದನು. ೧೦ ಕೂಡಲೆ ಆಕೆಯು ಅವನ ಪಾದಗಳ
ಮುಂದೆ ಬಿದ್ದು ಪ್ರಾಣಬಿಟ್ಟಳು. ಆ ಯೌವನಸ್ಥರು ಒಳಗೆ ಬಂದು ಆಕೆಯು ಸತ್ತಿರುವದನ್ನು ಕಂಡು
ಆಕೆಯನ್ನು ಹೊತ್ತುಕೊಂಡು ಹೋಗಿ ಗಂಡನ ಮಗ್ಗುಲಲ್ಲಿ ಹೂಣಿಟ್ಟರು. ೧೧ ಮತ್ತು ಸರ್ವಸಭೆಗೂ ಈ
ಸಂಗತಿಗಳನ್ನು ಕೇಳಿದವರೆಲ್ಲರಿಗೂ ಮಹಾ ಭಯಹಿಡಿಯಿತು.

### ಅಧಿಕಾರಿಗಳು ಅಪೊಸ್ತಲರನ್ನು ಸೆರೆಯಲ್ಲಿ ಹಾಕಿಸಲು ದೇವದೂತನು ಅವರನ್ನು ಬಿಡಿಸಿದ್ದು; ಅವರ ವಿಷಯದಲ್ಲಿ ಗಮಲಿಯೇಲನು ಹೇಳಿದ ಆಲೋಚನೆ

೧೨ ಇದಲ್ಲದೆ ಅಪೊಸ್ತಲರ ಕೈಯಿಂದ ಅನೇಕ ಸೂಚಕಕಾರ್ಯಗಳೂ ಅದ್ಭುತಕರ್ಯಗಳೂ
ಜನರಲ್ಲಿ ನಡೆಯುತ್ತಾ ಇದ್ದವು. ಮತ್ತು ಎಲ್ಲರು ಒಗ್ಗಟ್ಟಾಗಿ ಸೊಲೊಮೋನನ ಮಂಟಪದಲ್ಲಿ
ಇರುತ್ತಿದ್ದರು. ೧೩ ಅವರ ಜೊತೆಯಲ್ಲಿರುವದಕ್ಕೆ ಮಿಕ್ಕಾದವರೊಳಗೆ ಒಬ್ಬರಿಗೂ
ಧೈರ್ಯವಿರಲಿಲ್ಲ. ಆದರೂ ಜನರು ಅವರನ್ನು ಬಹಳವಾಗಿ ಕೊಂಡಾಡುತ್ತಿದ್ದರು; ೧೪ ಮತ್ತು
ಇನ್ನು ಎಷ್ಟೋ ಮಂದಿ ಗಂಡಸರೂ ಹೆಂಗಸರೂ ಕರ್ತನಲ್ಲಿ ನಂಬಿಕೆಯಿಡುವವರಾಗಿ ಅವರ
ಮಂಡಲಿಯಲ್ಲಿ ಸೇರಿ ಕೊಳ್ಳುತ್ತಿದ್ದರು. ೧೫ ಹೀಗಿರುವದರಿಂದ ಜನರು ರೋಗಿಗಳನ್ನು
ದೊಲಿಗಳ ಮೇಲೆಯೂ ಹಾಸಿಗೆಗಳ ಮೇಲೆಯೂ ಇಟ್ಟು ಪೇತ್ರನು ಬರುವಾಗ್ಗೆ ಅವನ
ನೆರಳು ಇವರಲ್ಲಿ ಯಾವನ ಮೇಲಾದರೂ ಬೀಳಲಿ ಎಂದು ಅವರನ್ನು ಬೀದಿಗೆ ತೆಗೆದುಕೊಂಡು
ಬರುತ್ತಿದ್ದರು. ೧೬ ಯೆರೂಸಲೇಮಿನ ಸುತ್ತಲಿರುವ ಊರುಗಳ ಜನರು ಸಹ ರೋಗಿಗಳನ್ನೂ
ದೆವ್ವಗಳ ಕಾಟವಿದ್ದವರನ್ನೂ ಹೊತ್ತುಕೊಂಡು ಗುಂಪುಗುಂಪಾಗಿ ಬರುತ್ತಿದ್ದರು; ಅವರೆಲ್ಲರಿಗೂ
ವಾಸಿಯಾಗುವದು.
೧೭ ಹೀಗಿರುವಲ್ಲಿ ಮಹಾಯಾಜಕನೂ ಸದ್ದುಕಾಯರ ಮತಕ್ಕೆ ಸೇರಿದವರಾದ ಅವನ
ಜೊತೆಯಲ್ಲಿದ್ದವರೆಲ್ಲರೂ ಎದ್ದು ೧೮ ಮತಾಭಿಮಾನದಿಂದ ತುಂಬಿದವರಾಗಿ ಅಪೊಸ್ತಲರನ್ನು
ಹಿಡಿದು ಪಟ್ಟಣದ ಕಾವಲಿನಲ್ಲಿಟ್ಟರು. ೧೯ ಆದರೆ ಕರ್ತನ ದೂತನು ರಾತ್ರಿಯಲ್ಲಿ ಸೆರೆಮನೆಯ
ಬಾಗಿಲುಗಳನ್ನು ತೆರೆದು ಅವರನ್ನು ಹೊರಕ್ಕೆ ಕರೆದುಕೊಂಡು ಬಂದು – ೨೦ ನೀವು ಹೋಗಿ
ದೇವಾಲಯದಲ್ಲಿ ನಿಂತುಕೊಂಡು ಈ ಸಜ್ಜೀವವಿಷಯವಾದ ಮಾತುಗಳನ್ನೆಲ್ಲಾ ಜನರಿಗೆ ಹೇಳಿರಿ
ಅಂದನು. ೨೧ ಅವರು ಈ ಆಜ್ಞೆಯನ್ನು ಹೊಂದಿ ಬೆಳಕುಹರಿಯುವಾಗಲೇ ದೇವಾಲಯದೊಳಗೆ

ಹೋಗಿ ಉಪದೇಶಮಾಡಿದರು, ಇತ್ತಲಾಗಿ ಮಹಾಯಾಜಕನೂ ಅವನ ಜೊತೆಯಲ್ಲಿದ್ದವರೂ
ಬಂದು ಹಿರೀಸಭೆಯನ್ನೂ ಇಸ್ರಾಯೇಲ್ಯರ ಯಜಮಾನರ ಸಭೆಯೆಲ್ಲವನ್ನೂ ಕೂಡಿಸಿ
ಅವರನ್ನು ಕರತರುವದಕ್ಕೆ ಸೆರೆಮನೆಗೆ ಕಳುಹಿಸಿದರು. ೨೨ ಓಲೇಕಾರರು ಹೋಗಿ ಅವರನ್ನು
ಸೆರೆಮನೆಯಲ್ಲಿ ಕಾಣದೆ ಹಿಂತಿರಿಗಿ ಬಂದು – ಕಾವಲಿನ ೨೩ ಮನೆ ಪೂರ್ಣ ಭದ್ರವಾಗಿ
ಮುಚ್ಚಿರುವದನ್ನೂ ಕಾವಲುಗಾರರು ಬಾಗಿಲುಗಳಲ್ಲಿ ನಿಂತಿರುವದನ್ನೂ ಕಂಡೆವು; ಆದರೆ ತೆರೆದಾಗ
ಒಳಗೆ ಒಬ್ಬರನ್ನೂ ಕಾಣಲಿಲ್ಲ ಎಂದು ತಿಳಿಸಿದರು.
೨೪ ದೇವಾಲಯದ ಅಧಿಪತಿಯೂ ಮಹಾಯಾಜಕರೂ ಈ ಮಾತುಗಳನ್ನು ಕೇಳಿ ಇದರಿಂದ
ಏನಾದೀತೋ ಎಂದು ಕಳವಳಪಟ್ಟರು. ೨೫ ಹೀಗಿರಲಾಗಿ ಯಾರೋ ಒಬ್ಬನು ಬಂದು –
ಅಗೋ, ನೀವು ಸೆರೆಮನೆಯಲ್ಲಿಟ್ಟಿದ್ದ ಆ ಮನುಷ್ಯರು ದೇವಾಲಯದಲ್ಲಿ ನಿಂತುಕೊಂಡು
ಜನರಿಗೆ ಉಪದೇಶಮಾಡುತ್ತಿದ್ದಾರೆಂದು ಅವರಿಗೆ ತಿಳಿಸಿದನು. ೨೬ ಆಗ ಅಧಿಪತಿಯು
ಓಲೇಕಾರರ ಸಂಗಡ ಹೋಗಿ ಅವರನ್ನು ಕರೆದುಕೊಂಡು ಬಂದನು; ಆದರೆ ತಮಗೆ ಜನರು
ಕಲ್ಲೆಸೆದಾರೆಂದು ಹೆದರಿ ಬಲಾತ್ಕಾರ ಮಾಡಲಿಲ್ಲ. ೨೭ ಅವರನ್ನು ಕರತಂದು ಹಿರೀಸಭೆಯ
ಮುಂದೆ ನಿಲ್ಲಿಸಲು ಮಹಾಯಾಜಕನು ಅವರನ್ನು ವಿಚಾರಣೆಮಾಡುತ್ತಾ – ೨೮ ನೀವು ಈ ಹೆಸರನ್ನು
ಎತ್ತಿ ಉಪದೇಶಮಾಡಲೇ ಬಾರದೆಂದು ನಾವು ನಿಮಗೆ ಖಂಡಿತವಾಗಿ ಅಪ್ಪಣೆಕೊಟ್ಟೆವಲ್ಲಾ;
ಆದರೂ ನೀವು ಯೆರೂಸಲೇಮನ್ನು ನಿಮ್ಮ ಉಪದೇಶದಿಂದ ತುಂಬಿಸಿದಿರಿ, ಮತ್ತು ಆ
ಮನುಷ್ಯನನ್ನು ಕೊಲ್ಲಿಸಿದ್ದಕ್ಕೆ ನಮ್ಮನ್ನು ಹೊಣೆಮಾಡಬೇಕೆಂದಿದ್ದೀರಿ ಎಂದು ಹೇಳಿದ್ದಕ್ಕೆ
೨೯ ಪೇತ್ರನೂ ಉಳಿದ ಅಪೊಸ್ತಲರೂ – ಮನುಷ್ಯರಿಗಿಂತಲೂ ದೇವರಿಗೆ ಹೆಚ್ಚಾಗಿ
ವಿಧೇಯರಾಗಿರಬೇಕಲ್ಲಾ. ೩೦ ನೀವು ಮರದ ಕಂಭಕ್ಕೆ ತೂಗಹಾಕಿ ಕೊಂದು ಯೇಸುವನ್ನು
ನಮ್ಮ ಪಿತೃಗಳ ದೇವರು ಎಬ್ಬಿಸಿದನು. ೩೧ ದೇವರು ಆತನನ್ನೇ ಇಸ್ರಾಯೇಲ್ ಜನರಿಗೆ
ಮಾನಸಾಂತರವನ್ನೂ ಪಾಪಪರಿಹಾರವನ್ನೂ ದಯಪಾಲಿಸುವದಕ್ಕಾಗಿ ನಾಯಕನೆಂತಲೂ
ರಕ್ಷಕನೆಂತಲೂ ತನ್ನ ಬಲಗೈಯಿಂದ ಉನ್ನತಸ್ಥಾನಕ್ಕೆ ಏರಿಸಿದನು. ೩೨ ಈ ಕಾರ್ಯಗಳಿಗೆ ನಾವು
ಸಾಕ್ಷಿ; ದೇವರು ತನಗೆ ವಿಧೇಯರಾಗಿರುವವರಿಗೆ ದಯಪಾಲಿಸಿರುವ ಪವಿತ್ರಾತ್ಮನೂ ಸಾಕ್ಷಿ
ಎಂದು ಹೇಳಿದರು.
೩೩ ಸಭಿಕರು ಈ ಮಾತನ್ನು ಕೇಳಿ ರೌದ್ರವಾಗಿ ಅವರನ್ನು ಕೊಲ್ಲಿಸಬೇಕೆಂದು ಯೋಚಿಸಿದರು;
೩೪ ಆದರೆ ಎಲ್ಲಾ ಜನರಿಂದ ಮಾನಹೊಂದಿದ ನ್ಯಾಯಶಾಸ್ತ್ರಿಯಾದ ಗಮಲಿಯೇಲನೆಂಬ
ಒಬ್ಬ ಫರಿಸಾಯನು ಹಿರೀಸಭೆಯಲ್ಲಿ ಎದ್ದುನಿಂತು ಈ ಮನುಷ್ಯರನ್ನು ಸ್ವಲ್ಪ ಹೊತ್ತು ಹೊರಗೆ
ಕಳುಹಿಸಬೇಕೆಂದು ಅಪ್ಪಣೆಕೊಟ್ಟು ಸಭೆಯವರಿಗೆ – ೩೫ ಇಸ್ರಾಯೇಲ್ ಜನರೇ, ನೀವು
ಈ ಮನುಷ್ಯರ ವಿಷಯದಲ್ಲಿ ಮಾಡಬೇಕೆಂದಿರುವದನ್ನು ಕುರಿತು ಎಚ್ಚರಿಕೆಯುಳ್ಳವರಾಗಿರ್ರಿ.
೩೬ ಇದಕ್ಕಿಂತ ಮುಂಚೆ ಥೈದನು ಎದ್ದು ತನು ದೊಡ್ಡ ಮನುಷ್ಯನೆಂದು ಹೇಳಿಕೊಂಡನು. ಅವನ
ಪಕ್ಷಕ್ಕೆ ಸುಮಾರು ನಾನೂರು ಜನರು ಸೇರಿಕೊಂಡರು, ಅವನು ಕೊಲ್ಲಲ್ಪಟ್ಟನು, ಮತ್ತು ಅವನನ್ನು
ನಂಬಿದವರೆಲ್ಲರು ಚದರಿಸಲ್ಪಟ್ಟು ಇಲ್ಲವಾದರು. ೩೭ ಅವನ ತರುವಾಯ ಖಾನೇಷುಮಾರಿಯ
ಕಾಲದಲ್ಲಿ ಗಲಿಲಾಯದ ಯೂದನು ಎದ್ದು ಜನರನ್ನು ತನ್ನ ಸಹಿತ ತಿರುಗಿಬೀಳುವದಕ್ಕೆ
ಪ್ರೇರೇಪಿಸಿದನು. ಅವನೂ ಹಳಾದನು; ಮತ್ತು ಅವನನ್ನು ನಂಬಿದವರೆಲ್ಲರು ಚದರಿಹೋದರು.
೩೮ ಹೀಗಿರುವದರಿಂದ ನಾನು ನಿಮಗೆ ಹೇಳುವದೇನಂದರೆ ನೀವು ಆ ಮನುಷ್ಯರ ಗೊಡವೆಗೆ
ಹೋಗಬೇಡಿರಿ, ಅವರನ್ನು ಬಿಡಿರಿ; ಯಾಕಂದರೆ ಈ ಯೋಚನೆಯು ಅಥವಾ ಈ ಕೆಲಸವು
ಮನುಷ್ಯರಿಂದಾಗಿದ್ದರೆ ತಾನೇ ಕೆಡುವದು; ೩೯ ಅದು ದೇವರಿಂದಾಗಿದ್ದರೆ ಅದನ್ನು ಕೆಡಿಸುವದಕ್ಕೆ
ನಿಮ್ಮಿಂದ ಆಗುವದಿಲ್ಲ. ನೀವು ಒಂದು ವೇಳೆ ದೇವರ ಮೇಲೆ ಯುದ್ಧಮಾಡುವವರಾಗಿ
ಕಾಣಿಸಿಕೊಂಡೀರಿ ಎಂದು ಹೇಳಿದನು.
೪೦ ಅವರು ಅವನ ಮಾತಿಗೆ ಒಪ್ಪಿ ಅಪೊಸ್ತಲರನ್ನು ಕರೆಸಿ ಹೊಡಿಸಿ ಯೇಸುವಿನ ಹೆಸರನ್ನು
ಹೇಳಿ ಮಾತಾಡಬಾರದೆಂದು ಅಪ್ಪಣೆಕೊಟ್ಟು ಅವರನ್ನು ಬಿಟ್ಟು ಬಿಟ್ಟರು. ೪೧ ಅಪೊಸ್ತಲರು
ತಾವು ಆ ಹೆಸರಿನ ನಿಮಿತ್ತವಾಗಿ ಅವಮಾನಪಡುವದಕ್ಕೆ ಯೋಗ್ಯರೆನಿಸಿಕೊಂಡೆವೆಂದು
ಸಂತೋಷಿಸುತ್ತಾ ೪೨ ಹಿರೀಸಭೆಯ ಎದುರಿನಿಂದ ಹೊರಟುಹೋಗಿ ಪ್ರತಿದಿನ ಎಡೆಬಿಡದೆ
ದೇವಾಲಯದಲ್ಲಿಯೂ ಮನೆಮನೆಯಲ್ಲಿಯೂ ಉಪದೇಶಮಾಡುತ್ತಾ ಕ್ರಿಸ್ತನಾದ ಯೇಸುವಿನ
ವಿಷಯವಾದ ಶುಭವರ್ತಮಾನವನ್ನು ಸಾರುತ್ತಾ ಇದ್ದರು.

೬ ೧ ಆ ದಿವಸಗಳಲ್ಲಿ ಶಿಷ್ಯರು ಹೆಚ್ಚುತ್ತಾ ಬರಲಾಗಿ ಅವರೊಳಗೆ ಗ್ರೀಕ್ ಭಾಷೆಯವರು
ಇಬ್ರಿಯ ಭಾಷೆಯವರ ಮೇಲೆ – ದಿನದಿನದ ಉಪಚಾರದಲ್ಲಿ ನಮ್ಮ ವಿಧವೆಯರನ್ನು

ಸರಿಯಾಗಿ ಪರಾಂಬರಿಸುವದಿಲ್ಲವೆಂದು ಗುಣುಗುಟ್ಟಿದರು. ೨ ಆಗ ಹನ್ನೆರಡು ಮಂದಿ
ಅಪೊಸ್ತಲರು ಶಿಷ್ಯಮಂಡಲಿಯನ್ನು ಕೂಡಿಸಿ – ನಾವು ದೇವರ ವಾಕ್ಯೋಪದೇಶವನ್ನು
ಬಿಟ್ಟು ಉಪಚಾರಮಾಡುತ್ತಿರುವದು ತಕ್ಕದ್ದಲ್ಲವಲ್ಲಾ; ೩ ಆದದರಿಂದ ಸಹೋದರರೇ,
ಸಂಭಾವಿತರೂ ಪವಿತ್ರಾತ್ಮಭರಿತರೂ ಜ್ಞಾನಸಂಪನ್ನರೂ ಆಗಿರುವ ಏಳು ಮಂದಿಯನ್ನು
ನಿಮ್ಮೊಳಗಿಂದ ನೋಡಿ ಆರಿಸಿಕೊಳ್ಳಿರಿ; ಅವರನ್ನು ಈ ಕೆಲಸದ ಮೇಲೆ ನೇಮಿಸುವೆವು.
೪ ನಾವಾದರೋ ಪ್ರಾರ್ಥನೆಯನ್ನೂ ವಾಕ್ಯೋಪದೇಶವನ್ನೂ ಮಾಡುವದರಲ್ಲಿ ನಿರತರಾಗಿರುವೆವು
ಎಂದು ಹೇಳಿದರು. ೫ ಈ ಮಾತು ಸರ್ವಮಂಡಲಿಗೆ ಒಳ್ಳೇದೆಂದು ತೋಚಿತು. ಅವರು
ಪವಿತ್ರಾತ್ಮಭರಿತನೂ ನಂಬಿಕೆಯಿಂದ ತುಂಬಿದವನೂ ಆದ ಸ್ತೆಫನನನ್ನೂ, ಫಿಲಿಪ್ಪ, ಪ್ರೊಖೋರ,
ನಿಕನೋರ, ತಿಮೋನ, ಪರ್ಮೇನ, ಯೆಹೂದ್ಯ ಮತಾವಲಂಬಿಯಾದ ಅಂತಿಯೋಕ್ಯದ
ನಿಕೊಲಾಯ ಎಂಬರನ್ನೂ ಆರಿಸಿಕೊಂಡು ಅಪೊಸ್ತಲರ ಮುಂದೆ ನಿಲ್ಲಿಸಿದರು. ೬ ಅಪೊಸ್ತಲರು
ಪ್ರಾರ್ಥನೆಮಾಡಿ ಅವರ ಮೇಲೆ ಕೈಗಳನ್ನಿಟ್ಟು ನೇಮಿಸಿದರು. ೭ ಮತ್ತು ದೇವರ ವಾಕ್ಯವು
ಪ್ರಬಲವಾಯಿತು. ಶಿಷ್ಯರ ಸಂಖ್ಯೆಯು ಯೆರೂಸಲೇಮಿನಲ್ಲಿ ಬಹಳವಾಗಿ ಹೆಚ್ಚುತ್ತಾ ಬಂತು.
ಯಾಜಕರಲ್ಲಿಯೂ ಬಹುಜನರು ಕ್ರಿಸ್ತನಂಬಿಕೆಗೆ ಒಳಗಾಗುತ್ತಾ ಇದ್ದರು. ದೇವದೂಷಣೆ
ಮಾಡಿದನೆಂದು ಕೆಲವರು ಸ್ತೆಫನನ ಮೇಲೆ ತಪ್ಪು ಹೊರಿಸಿದ್ದು; ಅವನು ಪ್ರತಿವಾದ ಮಾಡಿದ
ಮೇಲೆ ಮರಣದಂಡನೆಯನ್ನು ಹೊಂದಿದ್ದು ೮ ಸ್ತೆಫನನು ದೇವರ ಕೃಪೆಯಿಂದಲೂ ಬಲದಿಂದಲೂ
ತುಂಬಿದವನಾಗಿ ಜನರಲ್ಲಿ ಮಹಾ ಅದ್ಭುತ ಕಾರ್ಯಗಳನ್ನೂ ಸೂಚಕಕಾರ್ಯಗಳನ್ನೂ ಮಾಡುತ್ತಾ
ಇದ್ದನು. ೯ ಆದರೆ ಲಿಬೆರ್ತೀನರೆಂಬವರ ಸಮಾಜದವರಲ್ಲಿಯೂ ಕುರೇನ್ಯದವರ ಮತ್ತು
ಅಲೆಕ್ಸಾಂದ್ರಿಯದವರ ಸಮಾಜದವರಲ್ಲಿಯೂ ಕಿಲಿಕ್ಯ ಆಸ್ಯ ಸೀಮೆಗಳಿಂದ ಬಂದವರ
ಸಮಾಜದವರಲ್ಲಿಯೂ ಕೆಲವರು ಎದ್ದು ಸ್ತೆಫನನ ಸಂಗಡ ತರ್ಕಮಾಡುತ್ತಾ ಇರಲು ೧೦ ಅವನ
ಮಾತಿನಲ್ಲಿ ಕಂಡುಬಂದ ಜ್ಞಾನವನ್ನೂ ಪವಿತ್ರಾತ್ಮ ಶಕ್ತಿಯನ್ನೂ ಎದುರಿಸಲಾರದೆ ಹೋದರು.
೧೧ ಆಗ ಅವರು ಕೆಲವು ಮನುಷ್ಯರಿಗೆ – ಇವನು ಮೋಶೆಗೆ ವಿರೋಧವಾಗಿಯೂ ದೇವರಿಗೆ
ವಿರೋಧವಾಗಿಯೂ ದೂಷಣೆಯ ಮಾತುಗಳನ್ನಾಡುವದನ್ನು ಕೇಳಿದೆವೆಂದು ಹೇಳಿರಿ
ಎಂಬದಾಗಿ ಬೋಧಿಸಿ ೧೨ ಜನರನ್ನೂ ಹಿರಿಯರನ್ನೂ ಶಾಸ್ತ್ರಿಗಳನ್ನೂ ರೇಗಿಸಿದರು; ಮತ್ತು ಬಂದು
ಅವನನ್ನು ಹಿಡಿದು ೧೩ ಹಿರೀಸಭೆಗೆ ತೆಗೆದುಕೊಂಡು ಹೋಗಿ ಸುಳ್ಳುಸಾಕ್ಷಿಗಳನ್ನು ಕರತಂದು
ನಿಲ್ಲಿಸಿದರು. ಆ ಸಾಕ್ಷಿಗಳು – ಈ ಮನುಷ್ಯನು ಈ ಪರಿಶುದ್ಧವಾದ ಸ್ಥಳಕ್ಕೆ ವಿರೋಧವಾಗಿಯೂ
ಧರ್ಮಶಾಸ್ತ್ರಕ್ಕೆ ವಿರೋಧವಾಗಿಯೂ ಮಾತಾಡುವದನ್ನು ಬಿಡುವದೇ ಇಲ್ಲ. ೧೪ ಆ ನಜರೇತಿನ
ಯೇಸು ಈ ದೇವಾಲಯವನ್ನು ಕೆಡವಿ ಮೋಶೆ ನಮಗೆ ನೇಮಿಸಿರುವ ಆಚಾರಗಳನ್ನು
ಬೇರೆ ಮಾಡುವನೆಂಬದಾಗಿ ಇವನು ಹೇಳುವದನ್ನು ನಾವು ಕೇಳಿದ್ದೇವೆ ಅಂದರು. ೧೫ ಆಗ
ಹಿರೀಸಭೆಯಲ್ಲಿ ಕೂತಿದ್ದವರೆಲ್ಲರು ಅವನನ್ನು ದೃಷ್ಟಿಸಿ ನೋಡಿ ಅವನ ಮುಖವು ದೇವದೂತನ
ಮುಖದಂತೆ ಇರುವದನ್ನು ಕಂಡರು.

೭ ೧ ಆಗ ಮಹಾಯಾಜಕನು – ಈ ಮಾತುಗಳು ಹೌದೋ ಎಂದು ಕೇಳಿದ್ದಕ್ಕೆ ಅವನು –
ಸಹೋದರರೇ, ತಂದೆಗಳೇ, ೨ ಕೇಳಿರಿ – ನಮ್ಮ ಮೂಲಪುರುಷನಾದ ಅಬ್ರಹಾಮನು
ಖಾರಾನಿನಲ್ಲಿ ವಾಸಮಾಡಿದ್ದಕ್ಕಿಂತ ಮುಂಚೆ ಮೆಸೊಪೊತಾಮ್ಯದಲ್ಲಿದ್ದಾಗ ಪ್ರಭಾವಸ್ವರೂಪನಾದ
ದೇವರು ೩ ಅವನಿಗೆ ಕಾಣಿಸಿಕೊಂಡು – ನಿನ್ನ ಸ್ವದೇಶವನ್ನೂ ನಿನ್ನ ಬಂಧುಬಳಗವನ್ನೂ ಬಿಟ್ಟು
ನಾನು ತೋರಿಸುವ ದೇಶಕ್ಕೆ ಹೊರಟುಹೋಗು ಎಂದು ಹೇಳಿದನು. ೪ ಆಗ ಅವನು ಕಸ್ದೀಯರ
ದೇಶದಿಂದ ಹೊರಟುಹೋಗಿ ಖಾರಾನಿನಲ್ಲಿ ವಾಸವಾಗಿದ್ದನು. ಅವನ ತಂದೆ ಸತ್ತಮೇಲೆ
ದೇವರು ಅವನನ್ನು ಅಲ್ಲಿಂದ ನೀವು ಈಗ ವಾಸವಾಗಿರುವ ಈ ದೇಶಕ್ಕೆ ಬರಮಾಡಿದನು.
೫ ಇದರಲ್ಲಿ ಅವನಿಗೆ ಕಾಲಿಡುವಷ್ಟಗು ಭೂಮಿಯನ್ನು ಸ್ವಾಸ್ಥ್ಯವಾಗಿ ಕೊಡದೆ ಅವನಿಗೆ ಮಕ್ಕಳು
ಇನ್ನೂ ಇಲ್ಲದಿರುವಾಗ – ಈ ದೇಶವನ್ನು ನಿನಗೂ ನಿನ್ನ ಹಿಂದೆ ಬರುವ ನಿನ್ನ ಸಂತತಿಗೂ
ಸ್ವಾಸ್ತಿಯಾಗಿ ಕಕೊಡುವೆನು ಎಂದು ಅವನಿಗೆ ವಾಗ್ದಾನಮಾಡಿದನು. ೬ ಇದಲ್ಲದೆ ದೇವರು
ಹೇಳಿದ್ದೇನಂದರೆ – ನಿನ್ನ ಸಂತಾನದವರು ಅನ್ಯದೇಶದಲ್ಲಿ ಪ್ರವಾಸಿಗಳಾಗಿರುವರು. ಆ
ಅನ್ಯದೇಶದವರು ಅವರನ್ನು ದಾಸರನ್ನಾಗಿ ಮಾಡಿಕೊಂಡು ನಾನೂರು ವರುಷಗಳ ತನಕ ಕ್ರೂರವಾಗಿ
ನಡಿಸುವರು. ೭ ಮತ್ತು ನಿನ್ನ ಸಂತನದವರು ದಾಸರಾಗಿ ಸೇವಿಸುವ ಅನ್ಯಜನರಿಗೆ ನಾನೇ
ನ್ಯಾಯತೀರಿಸುವೆನು. ಆ ಮೇಲೆ ಅವರು ಹೊರಟುಬಂದು ಈ ಸ್ಥಳದಲ್ಲಿ ನನ್ನನ್ನು ಆರಾಧಿಸುವರು
ಎಂಬದೇ. ೮ ಇದಲ್ಲದೆ ದೇವರು ಅವನ ಸಂಗಡ ಒಡಂಬಡಿಕೆಯನ್ನು ಮಾಡಿಕೊಂಡು ಅದಕ್ಕೆ
ಗುರುತಾಗಿ ಸುನ್ನತಿಯನ್ನು ನೇಮಿಸಿದನು. ಅದಕ್ಕನುಸಾರವಾಗಿ ಅಬ್ರಹಾಮನು ಇಸಾಕನನ್ನು

ಪಡೆದು ಎಂಟನೆಯ ದಿವಸದಲ್ಲಿ ಅವನಿಗೆ ಸುನ್ನತಿಮಾಡಿದನು. ಮುಂದೆ ಇಸಾಕನು
ಯಾಕೋಬನನ್ನು ಪಡೆದನು, ಯಾಕೋಬನು ಹನ್ನೆರಡು ಮಂದಿ ಮೂಲಪಿತೃಗಳನ್ನು ಪಡೆದನು.
೯ ಮೂಲಪಿತೃಗಳು ಹೊಟ್ಟೇಕಿಚ್ಚಿನಿಂದ ಯೋಸೇಫನನ್ನು ಐಗುಪ್ತದೇಶಕ್ಕೆ ಮಾರಿಬಿಟ್ಟರು.
೧೦ ಅಲ್ಲ ದೇವರು ಅವನ ಸಂಗಡ ಇದ್ದು ಅವನಿಗೆ ಬಂದ ಎಲ್ಲಾ ಸಂಕಟಗಳಿಂದ ಅವನನ್ನು
ಬಿಡಿಸಿ ಐಗುಪ್ತದೇಶದ ಅರಸನಾದ ಫರೋಹನ ಸಮ್ಮುಖದಲ್ಲಿ ದಯಾಪಾತ್ರನೂ ಜ್ಞಾನವುಳ್ಳವನೂ
ಆಗಿರುವಂತೆ ಅನುಗ್ರಹಿಸಿದನು. ಫರೋಹನು ಅವನನ್ನು ಐಗುಪ್ತದೇಶದ ಮೇಲೆಯೂ ತನ್ನ
ಎಲ್ಲಾ ಮನೆಯ ಮೇಲೆಯೂ ಅಧಿಕಾರಿಯಾಗಿ ಇಟ್ಟನು. ೧೧ ಆಗ ಐಗುಪ್ತ ಕಾನಾನ್ ದೇಶಗಳಲ್ಲಿ
ಎಲ್ಲೆಲ್ಲಿಯೂ ಬರ ಬಂದು ದೊಡ್ಡ ಸಂಕಟವಾಯಿತು; ನಮ್ಮ ಪಿತೃಗಳಿಗೆ ಕಾಳುಕಡ್ಡಿ ಸಿಕ್ಕಲಿಲ್ಲ.
೧೨ ಆದರೆ ಐಗುಪ್ತದೇಶದಲ್ಲಿ ದವಸಧಾನ್ಯ ಉಂಟೆಂಬದನ್ನು ಯಾಕೋಬನು ಕೇಳಿ ನಮ್ಮ
ಪಿತೃಗಳನ್ನು ಮೊದಲು ಒಂದು ಸಾರಿ ಅಲ್ಲಿಗೆ ಕಳುಹಿಸಿದನು. ೧೩ ಅವರು ಎರಡನೆಯ ಸಾರಿ
ಬಂದಾಗ ಯೋಸೇಫನು ಅಣ್ಣತಮ್ಮಂದಿರಿಗೆ ತನ್ನ ಗುರುತು ಸಿಕ್ಕುವಂತೆ ಮಾಡಿದನು. ಮತ್ತು
ಯೋಸೇಫನ ವಂಶವು ಫರೋಹನಿಗೆ ತಿಳಿಯ ಬಂತು. ೧೪ ಆ ಮೇಲೆ ಯೋಸೇಫನು ತನ್ನ
ತಂದೆಯಾದ ಯಾಕೋಬನನ್ನೂ ತನ್ನ ಎಲ್ಲಾ ಬಂಧುಬಳಗವನ್ನೂ ಒಟ್ಟಿಗೆ ಎಪ್ಪತ್ತೈದು ಮಂದಿಯನ್ನು
ಕರೆಯಿಸಿಕೊಳ್ಳಲಾಗಿ ಯಾಕೋಬನು ಐಗುಪ್ತದೇಶಕ್ಕೆ ಇಳಿದುಹೋದನು. ೧೫ ಅಲ್ಲಿ ಅವನೂ
ನಮ್ಮ ಪಿತೃಗಳೂ ತೀರಿಹೋದರು. ೧೬ ಅವರನ್ನು ಶೇಕೆಮಿಗೆ ತೆಗೆದುಕೊಂಡು ಹೋಗಿ ಅಲ್ಲಿ
ಹಮೋರನ ಮಕ್ಕಳಿಂದ ಅಬ್ರಹಾಮನು ಬೆಳ್ಳಿಕೊಟ್ಟು ಕೊಂಡುಕೊಂಡಿದ್ದ ಸಮಾಧಿಯೊಳಗೆ
ಇಟ್ಟರು. ೧೭ ಆದರೆ ದೇವರು ಅಬ್ರಹಾಮನಿಗೆ ವಾಗ್ದಾನ ಮಾಡಿದ್ದ ಕಾಲವು ಹತ್ತರಕ್ಕೆ ಬರುತ್ತಿರುವಾಗ
ನಮ್ಮ ಜನರು ಐಗುಪ್ತ ದೇಶದಲ್ಲಿ ಹೆಚ್ಚಿ ಬಹಳವಾದರು. ೧೮ ಕಡೆಗೆ ಯೋಸೇಫನನ್ನು ಅರಿಯದ
ಬೇರೊಬ್ಬ ಅರಸನು ಆಳಿಕೆಗೆ ಬಂದನು. ೧೯ ಈ ಅರಸನು ನಮ್ಮ ಜನರಲ್ಲಿ ಕುಯುಕ್ತಿ ಮಾಡಿ ಅವರ
ಕೂಸುಗಳನ್ನು ಜೀವದಿಂದುಳಿಸಬಾರದೆಂದು ಹೊರಗೆ ಹಾಕಿಸಿ ನಮ್ಮ ಪಿತೃಗಳನ್ನು ಕ್ರೂರವಾಗಿ
ನಡಿಸಿದನು. ೨೦ ಆ ಸಮಯದಲ್ಲೇ ಮೋಶೆಯು ಹುಟ್ಟಿದನು. ಅವನು ದಿವ್ಯಸುಂದರನಾಗಿದ್ದನು;
ಮತ್ತು ತಂದೆಯ ಮನೆಯಲ್ಲಿ ಮೂರು ತಿಂಗಳು ಸಾಕಲ್ಪಟ್ಟನು. ೨೧ ಆ ಮೇಲೆ ಅವನನ್ನು
ಹೊರಗೆ ಹಾಕಿದಾಗ ಫರೋಹನ ಮಗಳು ಅವನನ್ನು ಎತ್ತಿಕೊಂಡು ಹೋಗಿ ತನ್ನ ಮಗನಾಗಿ
ಸಾಕಿದಳು. ೨೨ ಮೋಶೆಯು ಐಗುಪ್ತದೇಶದವರ ಸರ್ವವಿದ್ಯೆಗಳಲ್ಲಿಯೂ ಉಪದೇಶಹೊಂದಿ
ಮಾತುಗಳಲ್ಲಿಯೂ ಕಾರ್ಯಗಳಲ್ಲಿಯೂ ಸಮರ್ಥನಾದನು. ೨೩ ಅವನಿಗೆ ನಾಲ್ವತ್ತು ವರುಷ ವಯಸ್ಸು
ತುಂಬುತ್ತಾ ಇರಲು ಇಸ್ರಾಯೇಲ್ ವಂಶಸ್ಥರಾದ ತನ್ನ ಸಹೋದರರನ್ನು ಹೋಗಿನೋಡಬೇಕೆಂಬ
ಆಶೆಯು ಅವನ ಹೃದಯದಲ್ಲಿ ಹುಟ್ಟಿತು. ೨೪ ಅವರಲ್ಲಿ ಒಬ್ಬನಿಗೆ ಅನ್ಯಾಯವಾಗುವದನ್ನು
ಅವನು ನೋಡಿ ಅವನಿಗೆ ಆಶ್ರಯಕೊಟ್ಟು ಪೀಡಿಸುವ ಐಗುಪ್ತ್ಯನನ್ನು ಹೊಡೆದು ಹಾಕಿ
ಮುಯ್ಯಿಗೆ ಮುಯ್ಯಿ ತೀರಿಸಿದನು. ೨೫ ದೇವರು ತನ್ನ ಕೈಯಿಂದ ಬಿಡುಗಡೆಯನ್ನು
ಉಂಟುಮಾಡುತ್ತಾನೆಂಬದು ತನ್ನ ಸಹೋದರರಿಗೆ ತಿಳಿದುಬರುವದೆಂದು ಭಾವಿಸಿದನು; ಆದರೆ
ಅವರು ಹಾಗೆ ತಿಳಿದುಕೊಳ್ಳಲಿಲ್ಲ. ೨೬ ಮರುದಿನ ತಾವು ತಾವೇ ಹೊಡೆದಾಡಿಕೊಳ್ಳುತ್ತಿರುವಾಗ
ಅವನು ಎದುರಾಗಿ ಬಂದು – ಜನರೇ, ನೀವು ಸಹೋದರರಲ್ಲವೇ, ನೀವೇಕೆ ಒಬ್ಬರಿಗೊಬ್ಬರು
ಅನ್ಯಾಯ ಮಾಡುತ್ತೀರಿ ಎಂದು ಹೇಳಿ ಅವರನ್ನು ಸಮಾಧಾನ ಪಡಿಸಬೇಕೆಂದಿದ್ದನು.
೨೭ ಆದರೆ ತನ್ನ ಸ್ವಕುಲದವನಿಗೆ ಅನ್ಯಾಯಮಾಡುತ್ತಿದ್ದವನು – ನಿನ್ನನ್ನು ನಮ್ಮ ಮೇಲೆ
ಅಧಿಕಾರಿಯನ್ನಾಗಿಯೂ ನ್ಯಾಯಾಧಿಪತಿಯನ್ನಾಗಿಯೂ ಇಟ್ಟವರು ಯಾರು? ೨೮ ನೀನ್ನೆ ಆ
ಐಗುಪ್ತ್ಯನನ್ನು ಕೊಂದಂತೆ ನನ್ನನ್ನೂ ಕೊಲ್ಲಬೇಕೆಂದಿದ್ದೀಯೋ ಎಂದು ಅವನನ್ನು ನೂಕಿಬಿಟ್ಟನು.
೨೯ ಈ ಮಾತನ್ನು ಕೇಳಿ ಮೋಶೆಯು ಓಡಿಹೋಗಿ ಮಿದ್ಯಾನ್ ದೇಶದಲ್ಲಿ ಪ್ರವಾಸಿಯಾದನು.
ಅಲ್ಲಿ ಇಬ್ಬರು ಗಂಡುಮಕ್ಕಳನ್ನು ಪಡೆದನು. ೩೦ ನಾಲ್ವತ್ತು ವರುಷ ತುಂಬಿದ ಮೇಲೆ ದೇವದೂತನು
ಸೀನಾಯಿಬೆಟ್ಟದ ಅಡವಿಯಲ್ಲಿ ಮುಳ್ಳಿನ ಪೊದೆಯೊಳಗೆ ಉರಿಯುವ ಬೆಂಕಿಯಲ್ಲಿ
ಅವನಿಗೆ ಕಾಣಿಸಿ ಕೊಂಡನು. ೩೧ ಮೋಶೆಯು ಅದನ್ನು ಕಂಡು ಆ ನೋಟಕ್ಕೆ ಆಚರ್ಯಪಟ್ಟು
ಚೆನ್ನಾಗಿ ನೋಡಬೇಕೆಂದು ಹತ್ತಿರ ಬರಲು – ೩೨ ನಾನು ನಿನ್ನ ಪಿತೃಗಳ ದೇವರು, ಅಬ್ರಹಾಮ
ಇಸಾಕ ಯಾಕೋಬರ ದೇವರು ಎಂದು ಕರ್ತನ ಶಬ್ದವುಂಟಾಯಿತು. ಆಗ ಮೋಶೆಯು ನಡುಗುತ್ತಾ
ಸ್ಥಿರವಾಗಿ ನೋಡುವದಕ್ಕೆ ಧೈರ್ಯವಿಲ್ಲದವನಾದನು. ೩೩ ಮತ್ತು ಕರ್ತನು ಅವನಿಗೆ – ನಿನ್ನ ಕಾಲಿನ
ಕೆರಗಳನ್ನು ತೆಗೆ; ನೀನು ನಿಂತಿರುವ ಸ್ಥಳವು ಪರಿಶುದ್ಧ ಭೂಮಿ. ೩೪ ಐಗುಪ್ತದೇಶದಲ್ಲಿರುವ
ನನ್ನ ಜನರ ದುರವಸ್ಥೆಯನ್ನು ನೋಡೇ ನೋಡಿದ್ದೇನೆ; ಅವರ ಮೊರೆಯನ್ನು ಕೇಳಿ ಅವರನ್ನು
ಬಿಡಿಸುವದಕ್ಕೆ ಇಳಿದುಬಂದಿದ್ದೇನೆ; ಈಗ ನಿನ್ನನ್ನು ಐಗುಪ್ತದೇಶಕ್ಕೆ ಕಳುಹಿಸುತ್ತೇನೆ, ಬಾ,

ಎಂದು ಹೇಳಿದನು. ೩೫ ಅವರು ಯಾವ ಮೋಶೆಯನ್ನು – ನಿನ್ನನ್ನು ಅಧಿಕಾರಿಯನ್ನಾಗಿಯೂ
ನ್ಯಾಯಾಧಿಪತಿಯನ್ನಾಗಿಯೂ ಇಟ್ಟವರು ಯಾರೆಂದು ಹೇಳಿ ಬೇಡವೆಂದರೋ ಅವನನ್ನೇ
ದೇವರು ಪೊದೆಯಲ್ಲಿ ಕಾಣಿಸಿಕೊಂಡ ದೂತನ ಕೈಯಿಂದ ಅಧಿಕಾರಿಯನ್ನಾಗಿಯೂ
ಬಿಡುಗಡೆಮಾಡುವವನನ್ನಾಗಿಯೂ ನೇಮಿಸಿದನು. ೩೬ ಅವನೇ ಐಗುಪ್ತ ದೇಶದಲ್ಲಿಯೂ
ಕೆಂಪು ಸಮುದ್ರದಲ್ಲಿಯೂ ನಾಲ್ವತ್ತು ವರುಷ ಅಡವಿಯಲ್ಲಿಯೂ ಅದ್ಭುತಕಾರ್ಯಗಳನ್ನೂ
ಸೂಚಕಕಾರ್ಯಗಳನ್ನೂ ಮಾಡುತ್ತಾ ಅವರನ್ನು ನಡೆಸಿ ಕೊಂಡು ಬಂದವನು. ೩೭ ಆ ಮೋಶೆಯೇ
– ದೇವರು ನನ್ನನ್ನು ಏರ್ಪಡಿಸಿದಂತೆ ನಿಮ್ಮ ಸಹೋದರರರಲ್ಲಿ ಮತ್ತೊಬ್ಬ ಪ್ರವಾದಿಯನ್ನು
ನಿಮಗೆ ಏರ್ಪಡಿಸಿಕೊಡುವನು ಎಂದು ಇಸ್ರಾಯೇಲ್ ಜನರಿಗೆ ಹೇಳಿದವನು. ೩೮ ಅವನೇ
ಸೀನಾಯಿಬೆಟ್ಟದಲ್ಲಿ ತನ್ನೊಡನೆ ಮಾತಾಡಿದ ದೂತನಿಗೂ ನಮ್ಮ ಪಿತೃಗಳಿಗೂ ಅಡವಿಯಲ್ಲಿದ್ದ
ಸಭೆಯೊಳಗೆ ಮಧ್ಯಸ್ಥನಾಗಿದ್ದು ಜೀವಕರವಾದ ದೇವೋಕ್ತಿಗಳನ್ನು ಹೊಂದಿ ನಮಗೆ
ಕೊಟ್ಟವನು. ೩೯ ಆದರೆ ನಮ್ಮ ಪಿತೃಗಳು ಅವನ ಮಾತುಗಳನ್ನು ಕೇಳುವದಕ್ಕೆ ಮನಸ್ಸಿಲ್ಲದವರಾಗಿ
ಅವನನ್ನು ತಳ್ಳಿಬಿಟ್ಟು ತಿರಿಗಿ ಐಗುಪ್ತದೇಶದ ಕಡೆಗೆ ಮನಸ್ಸಿಟ್ಟರು. ೪೦ ಅವರು ಆರೋನನಿಗೆ –
ಐಗುಪ್ತದೇಶದಿಂದ ನಮ್ಮನ್ನು ಕರಕೊಂಡು ಬಂದ ಆ ಮೋಶೆಯು ಏನಾದನೋ ಗೊತ್ತಿಲ್ಲ, ನಮ್ಮ
ಮುಂದುಗಡೆಯಲ್ಲಿ ಹೋಗುವದಕ್ಕೆ ದೇವರುಗಳನ್ನು ನಮಗೆ ಮಾಡಿಕೊಡು ಎಂದು ಹೇಳಿದರು.
೪೧ ಆದರೆ ದೇವರು ಅವರಿಗೆ ವಿಮುಖನಾಗಿ ಆಕಾಶದ ನಕ್ಷತ್ರಗಣವನ್ನು ಪೂಜಿಸುವದಕ್ಕೆ ಅವರನ್ನು
ಒಪ್ಪಿಸಿಬಿಟ್ಟನು. ಪ್ರವಾದಿಗಳ ಗ್ರಂಥದಲ್ಲಿ ಬರೆದಿರುವದೇನಂದರೆ–

೪೨ ಇಸ್ರಾಯೇಲ್ ವಂಶದವರೇ, ನೀವು ಅರಣ್ಯದಲ್ಲಿದ್ದ ನಾಲ್ವತ್ತು ವರುಷ =ನನಗೆ ಯಜ್ಞಗಳನ್ನೂ
ಬಲಿಗಳನ್ನೂ ಅರ್ಪಿಸುತ್ತಿದಿರೋ? ಇಲ್ಲವಲ್ಲಾ; ೪೩ ಅದಕ್ಕೆ ಬದಲಾಗಿ ನೀವು
ಪೂಜಿಸಬೇಕೆಂದು ಮಾಡಿಕೊಂಡ ಮೂರ್ತಿಗಳನ್ನು
ಅಂದರೆ ಮೋಲೋಖನ ಗುಡಾರವನ್ನೂ ರೊಂಫಾ ದೇವತೆಯ ನಕ್ಷತ್ರರೂಪವನ್ನೂ ಹೊತ್ತು ಕೊಂಡು
ಹೋದರಿ.
ಆದದರಿಂದ ನಾನು ನಿಮ್ಮನ್ನು ಬಾಬೆಲಿನ ಆಚೆಗೆ ಗಡೀಪಾರು ಮಾಡುವೆನು ಎಂಬದು.

೪೪ ದೇವದರ್ಶನಗುಡಾರವು ಅಡವಿಯೊಳಗೆ ನಮ್ಮ ಪಿತೃಗಳ ಬಳಿಯಲ್ಲಿ ಇತ್ತು,
ಮೋಶೆಯ ಸಂಗಡ ಮಾತಾಡಿದವನು – ನೀನು ನೋಡಿದ ಮಾದರಿಯ ಪ್ರಕಾರವೇ ಅದನ್ನು
ಮಾಡಿಸಬೇಕೆಂದು ನೇಮಿಸಿದ್ದನು. ೪೫ ನಮ್ಮ ಹಿರಿಯರು ಅದನ್ನು ತಮ್ಮ ತಂದೆಗಳಿಂದ
ಹೊಂದಿದರು; ಅವರು ಯೆಹೋಶುವನ ಹಿಂದೆ ಬಂದು ದೇವರು ತಮ್ಮ ಮುಂದೆ ಹೊರಡಿಸಿದ
ಅನ್ಯಜನಗಳ ದಪೇಶವನ್ನು ಸ್ವಾಧೀನಮಾಡಿಕೊಂಡಾಗ ಆ ಗುಡಾರವನ್ನು ಕೂಡ ತಂದರು.
ಅದು ದಾವೀದನ ಕಾಲದ ವರೆಗೂ ಇಲ್ಲೇ ಇತ್ತು. ೪೬ ದಾವೀದನು ದೇವರ ಸನ್ನಿಧಾನದಲ್ಲಿ
ಕೃಪೆ ಹೊಂದಿ ಯಾಕೋಬನ ವಂಶದವರಿಗೋಸ್ಕರ ದೇವಾಲಯವನ್ನು ಕಟ್ಟಿಸುವದಕ್ಕೆ
ಅಪ್ಪಣೆಯಾಗಬೇಕೆಂದು ಕೇಳಿಕೊಂಡನು. ೪೭ ಆದರೆ ಆತನಿಗೋಸ್ಕರ ಮನೆಯನ್ನು
ಕಟ್ಟಿಸಿದವನು ಸೊಲೊಮೋನನು. ೪೮ ಆದರೂ ಪರಾತ್ಪರನು ಕೈಯಿಂದ ಕಟ್ಟಿದ ಮನೆಗಳಲ್ಲಿ
ವಾಸಮಾಡುವವನಲ್ಲ. ೪೯ ಆಕಾಶವು ನನಗೆ ಸಿಂಹಾಸನ, ಭೂಮಿಯು ನನ್ನ ಪಾದಗಳಿಗೆ
ಪೀಠ, ನೀವು ನನಗೆ ಎಂಥ ಮನೆಯನ್ನು ಕಟ್ಟಿಕೊಡುವಿರಿ? ನನ್ನ ವಿಶ್ರಾಂತಿಗೆ ತಕ್ಕ ಸ್ಥಳವು
ಯಾವದು? ೫೦ ಇವುಗಳನ್ನೆಲ್ಲಾ ನನ್ನ ಕೈಯೇ ನಿರ್ಮಿಸಿತಲ್ಲಾ ಎಂಬದಾಗಿ ಕರ್ತನು ಹೇಳುತ್ತಾನೆ
ಎಂದು ಪ್ರವಾದಿಯು ನುಡಿದಿದ್ದಾನೆ. ೫೧ ಚಂಡಿಗಳೇ, ಮನಶ್ಯುದ್ಧಿಯೂ ಕರ್ಣಶುದ್ಧಿಯೂ
ಇಲ್ಲದವರೇ, ನಿಮ್ಮ ಪಿತೃಗಳು ಹೇಗೋ ಹಾಗೇಯೇ ನೀವೂ ಯಾವಾಗಲೂ ಪವಿತ್ರಾತ್ಮನನ್ನು
ಎದುರಿಸುವವರಾಗಿದ್ದೀರಿ. ೫೨ ಪ್ರವಾದಿಗಳಲ್ಲಿ ನಿಮ್ಮ ಪಿತೃಗಳು ಹಿಂಸೆಪಡಿಸದವರು
ಯಾರಿದ್ದಾರೆ? ಅವರು ಆ ನೀತಿಸ್ವರೂಪನ ಆಗಮನದ ವಿಷಯದಲ್ಲಿ ಮುಂತಿಳಿಸಿದವರನ್ನು
ಕೊಂದರು, ನೀವು ಈಗ ಆತನನ್ನು ಹಿಡುಕೊಟ್ಟು ಕೊಂದವರಾದಿರಿ. ೫೩ ದೇವದೂತರ ಮೂಲಕ
ನೇಮಕವಾದ ಧರ್ಮಶಾಸ್ತ್ರವನ್ನು ನೀವು ಹೊಂದಿದವರಾದರೂ ಅದನ್ನು ಅನುಸರಿಸುವದಿಲ್ಲ
ಎಂದು ಹೇಳಿದನು. ೫೪ ಈ ಮಾತುಗಳನ್ನು ಕೇಳಿ ಅವರು ರೌದ್ರ ಮನಸ್ಸುಳ್ಳವರಾಗಿ ಅವನ ಮೇಲೆ
ಹಲ್ಲು ಕಡಿದರು. ೫೫ ಆದರೆ ಅವನು ಪವಿತ್ರತ್ಮ ಭರಿತನಾಗಿ ಆಕಾಶದ ಕಡೆಗೆ ದೃಷ್ಟಿಸಿ ನೋಡಿ
ದೇವರ ಪ್ರಭಾವವನ್ನೂ ದೇವರ ಬಲಗಡೆಯಲ್ಲಿ ನಿಂತಿದ್ದ ಯೇಸುವನ್ನೂ ಕಂಡು ೫೬ ಅಗೋ,
ಅಕಾಶವು ತೆರೆದಿರುವದನ್ನೂ ಮನುಷ್ಯ ಕುಮಾರನು ದೇವರ ಬಲಗಡೆಯಲ್ಲಿ ನಿಂತಿರುವದನ್ನೂ
ನೋಡುತ್ತೇನೆ ಎಂದು ಹೇಲಿದನು. ೫೭ ಆದರೆ ಅವರು ಮಹಾಶಬ್ದದಿಂದ ಕೂಗಿ ಕಿವಿಗಳನ್ನು
ಮುಚ್ಚಿಕೊಂಡು ಒಟ್ಟಾಗಿ ಅವನ ಮೇಲೆ ಬಿದ್ದು ೫೮ ಅವನನ್ನು ಊರ ಹೊರಕ್ಕೆ ನೂಕಿಕೊಂಡು

ಹೋಗಿ ಕೊಲ್ಲುವದಕ್ಕೆ ಕಲ್ಲೆಸೆದರು. ಸಾಕ್ಷಿಯವರು ತಮ್ಮ ಬಟ್ಟೆಗಳನ್ನು ತೆಗೆದು ಸೌಲನೆಂಬ ಒಬ್ಬ
ಯೌವನಸ್ಥನ ಕಾಲುಗಳ ಬಳಿಯಲ್ಲಿ ಇಟ್ಟರು. ೫೯ ಅವರು ಸ್ತೆಫನನ ಮೇಲೆ ಕಲ್ಲೆಸೆಯುತ್ತಾ ಇರಲು
೬೦ ಅವನು ಕರ್ತನ ಹೆಸರನ್ನು ಹೇಳಿ – ಯೇಸು ಸ್ವಾಮಿಯೇ, ನನ್ನಾತ್ಮವನ್ನು ಸೇರಿಸಿಕೋ ಎಂದು
ಪ್ರಾರ್ಥಿಸಿ ಮೊಣಕಾಲೂರಿ – ಕರ್ತನೇ, ಈ ಪಾಪವನ್ನು ಅವರ ಮೇಲೆ ಹೊರಿಸಬೇಡವೆಂದು
ಮಹಾಶಬ್ದದಿಂದ ಕೂಗಿದನು.

ಇದನ್ನು ಹೇಳಿ ನಿದ್ರೆಹೋದನು. ಸೌಲನು ಅವನ ಕೊಲೆಗೆ ಸಮ್ಮತಿಸುವವನಾಗಿದ್ದನು.

೮ ೧ ಆ ದಿವಸದಲ್ಲಿ ಯೆರೂಸಲೇಮಿನಲ್ಲಿದ್ದ ಸಭೆಗೆ ದೊಡ್ಡ ಹಿಂಸೆ ಉಂಟಾಯಿತು.
ಅಪೊಸ್ತಲರು ಹೊರತಾಗಿ ಎಲ್ಲರು ಯೂದಾಯ ಸಮಾರ್ಯ ಸೀಮೆಗಳಲ್ಲಿ ಚದರಿಹೋದರು.
೨ ಭಕ್ತರಾದ ಜನರು ಸ್ತೆಫನನನ್ನು ಹೂಣಿಟ್ಟು ಅವನಿಗೋಸ್ಕರ ಬಹಳವಾಗಿ ಗೋಳಾಡಿದರು.
೩ ಆದರೆ ಸೌಲನು ಮನೆಮನೆಗಳಲ್ಲಿ ಹೊಕ್ಕು ಗಂಡಸರನ್ನೂ ಹೆಂಗಸರನ್ನೂ ಎಳಕೊಂಡು ಬಂದು
ಸೆರೆಮನೆಗೆ ಹಾಕಿಸಿ ಸಭೆಯನ್ನು ಹಾಳುಮಾಡುತ್ತಿದ್ದನು.

### ಫಿಲಿಪ್ಪನು ಸಮಾರ್ಯದಲ್ಲಿ ಸುವಾರ್ತೆಯನ್ನು ಪ್ರಸಂಗಿಸಿದ್ದು; ಸೀಮೋನನೆಂಬ ಮಂತ್ರವಾದಿಯನ್ನು ಕುರಿತದ್ದು

೪ ಚದರಿಹೋದವರು ಅಲ್ಲಲ್ಲಿ ಹೋಗಿ ಸುವಾರ್ತಾ ವಾಕ್ಯವನ್ನು ಸಾರುತ್ತಿದ್ದರು. ೫ ಫಿಲಿಪ್ಪನು
ಸಮಾರ್ಯವೆಂಬ ಪಟ್ಟಣಕ್ಕೆ ಹೋಗಿ ಕ್ರಿಸ್ತನನ್ನು ಅಲ್ಲಿರುವವರಿಗೆ ಪ್ರಕಟಿಸಿದನು. ೬ ಗುಂಪಾಗಿ
ಕೂಡಿದ ಜನಗಳು ಫಿಲಿಪ್ಪನ ಮಾತುಗಳನ್ನು ಕೇಳಿ ಅವನು ಮಾಡಿದ ಸೂಚಕಕಾರ್ಯಗಳನ್ನು
ನೋಡಿ ಅವನು ಹೇಳಿದ ಸಂಗತಿಗಳಿಗೆ ಏಕಮನಸ್ಸಾಗಿ ಲಕ್ಷ್ಯಕೊಟ್ಟರು. ೭ ಯಾಕಂದರೆ
ಅನೇಕರೊಳಗಿಂದ ದೆವ್ವಗಳು ಮಹಾಶಬ್ದದಿಂದ ಕೂಗಿ ಹೊರಗೆ ಬಂದವು; ಮತ್ತು ಅನೇಕ
ಪಾರ್ಶ್ವವಾಯು ರೋಗಿಗಳೂ ಕುಂಟರೂ ಸ್ವಸ್ಥಮಾಡಲ್ಪಟ್ಟರು. ೮ ಆ ಪಟ್ಟಣದಲ್ಲಿ ಬಹು
ಸಂತೋಷವಾಯಿತು. ೯ ಆದರೆ ಕೆಲವು ಕಾಲದಿಂದ ಆ ಪಟ್ಟಣದಲ್ಲಿದ್ದ ಸೀಮೋನನೆಂಬ ಒಬ್ಬ
ಮನುಷ್ಯನು ತಾನು ಏನೋ ಒಬ್ಬ ಮಹಾತ್ಮನೆಂದು ಹೇಳಿಕೊಂಡು ಮಂತ್ರತಂತ್ರಗಳನ್ನು ನಡಿಸಿ
ಸಮಾರ್ಯದ ಜನರಲ್ಲಿ ಬೆರಗನ್ನು ಹುಟ್ಟಿಸುತ್ತಿದ್ದನು.
೧೦ ಚಿಕ್ಕವರು ಮೊದಲುಗೊಂಡು ದೊಡ್ಡವರ ಪರ್ಯಂತರ ಎಲ್ಲರೂ – ಇವನು ಮಹಾಶಕ್ತಿ
ಎನಿಸಿಕೊಂಡಿರುವ ದೇವರ ಶಕ್ತಿಯೇ ಎಂದು ಏಳುತ್ತಾ ಅವನಿಗೆ ಲಕ್ಷ್ಯಕೊಡುತ್ತಿದ್ದರು.
೧೧ ಬಹುಕಾಲದಿಂದಲೂ ಅವನು ಮಂತ್ರತಂತ್ರಗಳನ್ನು ನಡಿಸಿ ಜನರಲ್ಲಿ ಬೆರಗನ್ನು ಹುಟ್ಟಿಸಿದ್ದ
ಕಾರಣದಿಂದ ಅವರು ಅವನಿಗೆ ಲಕ್ಷ್ಯಕೊಡುತ್ತಿದ್ದರು.
೧೨ ಆದರೆ ಫಿಲಿಪ್ಪನು ದೇವರ ರಾಜ್ಯದ ವಿಷಯದಲ್ಲಿಯೂ ಯೇಸುಕ್ರಿಸ್ತನ ಹೆಸರಿನ
ವಿಷಯದಲ್ಲಿಯೂ ಶುಭವರ್ತಮಾನವನ್ನು ಸಾರಲು ಗಂಡಸರೂ ಹೆಂಗಸರೂ ನಂಬಿ
ದೀಕ್ಷಾಸ್ನಾನಮಾಡಿಸಿಕೊಂಡರು.
೧೩ ಆಗ ಸೀಮೋನನು ಕೂಡ ನಂಬಿ ದೀಕ್ಷಾಸ್ನಾನಮಾಡಿಸಿಕೊಂಡು ಫಿಲಿಪ್ಪನ ಸಂಗಡ
ಯಾವಾಗಲೂ ಇದ್ದು ಸೂಚಕಕಾರ್ಯಗಳೂ ಮಹತ್ಕಾರ್ಯಗಳೂ ಉಂಟಾಗುವದನ್ನು ನೋಡಿ
ಬೆರಗಾದನು.
೧೪ ಸಮಾರ್ಯದವರು ದೇವರ ವಾಕ್ಯವನ್ನು ಸ್ವೀಕರಿಸಿದ ವರ್ತಮಾನವನ್ನು
ಯೆರೂಸಲೇಮಿನಲ್ಲಿದ್ದ ಅಪೊಸ್ತಲರು ಕೇಳಿ ಪೇತ್ರ ಯೋಹಾನರನ್ನು ಅವರ ಬಳಿಗೆ
ಕಳುಹಿಸಿದರು.
೧೫ ಇವರು ಅಲ್ಲಿಗೆ ಬಂದು ಆ ಜನರಿಗೆ ಪವಿತ್ರಾತ್ಮವರವು ದೊರೆಯಬೇಕೆಂದು ಅವರಿಗೋಸ್ಕರ
ಪ್ರಾರ್ಥನೆಮಾಡಿದರು.
೧೬ ಯಾಕಂದರೆ ಆ ವರವು ಅವರಲ್ಲಿ ಒಬ್ಬನ ಮೇಲಾದರೂ ಇನ್ನೂ ಬಂದಿರಲಿಲ್ಲ. ಅವರು ಕರ್ತನಾದ
ಯೇಸುವಿನ ಹೆಸರಿನಲ್ಲಿ ದೀಕ್ಷಾಸ್ನಾನವನ್ನು ಮಾತ್ರಮಾಡಿಸಿಕೊಂಡಿದ್ದರು.
೧೭ ಅಪೊಸ್ತಲರು ಅವರ ಮೇಲೆ ಕೈಗಳನ್ನಿಡಲು ಅವರು ಪವಿತ್ರಾತ್ಮವರವನ್ನು ಹೊಂದಿದರು.
೧೮ ಅಪೊಸ್ತಲರು ಕೈಗಳನ್ನಿಡುವದರ ಮೂಲಕವಾಗಿ ಪವಿತ್ರಾತ್ಮದಾನವಾಗುವದನ್ನು
ಸೀಮೋನನು ನೋಡಿ ಹಣವನ್ನು ತಂದು ಅವರ ಮುಂದಿಟ್ಟು –
೧೯ ನಾನು ಯಾರ ಮೇಲೆ ಕೈಗಳನ್ನಿಡುತ್ತೇನೋ ಅವರು ಪವಿತ್ರಾತ್ಮವರವನ್ನು ಹೊಂದುವಂತೆ
ಈ ಅಧಿಕಾರವನ್ನು ನನಗೂ ಕೊಡಿರಿ ಅಂದನು. ೨೦ ಆದರೆ ಪೇತ್ರನು ಅವನಿಗೆ – ನಿನ್ನ ಬೆಳ್ಳಿಯು

ನಿನ್ನ ಕೂಡ ಹಾಳಾಗಿಹೋಗಲಿ. ದೇವರ ವರವನ್ನು ಹಣಕ್ಕೆ ಕೊಂಡುಕೊಳ್ಳಬಹುದೆಂದು
ಭಾವಿಸುತ್ತೀಯೋ? ೨೧ ಈ ಕಾರ್ಯದಲ್ಲಿ ನಿನಗೆ ಭಾಗವೂ ಇಲ್ಲ, ಪಾಲೂ ಇಲ್ಲ; ನಿನ್ನ ಹೃದಯವು
ದೇವರ ಮುಂದೆ ಸರಿಯಲ್ಲ. ೨೨ ಆದದರಿಂದ ಈ ನಿನ್ನ ಕೆಟ್ಟತನವನ್ನು ಬಿಟ್ಟು ದೇವರ ಕಡೆಗೆ
ತಿರುಗಿಕೊಂಡು ಕರ್ತನು ನಿನ್ನ ಮನಸ್ಸಿನ ಆಲೋಚನೆಯನ್ನು ಕ್ಷಮಿಸುವನೋ ಏನೋ ಆತನನ್ನು
ಬೇಡಿಕೋ. ೨೩ ಯಾಕಂದರೆ ನೀನು ಹಾನಿಕರವಾದ ವಿಷವೂ ದುಷ್ಟತ್ವದಲ್ಲಿ ಬಿಗಿಯುವ
ಬಂಧನವೂ ಆಗಿರುವನೆಂದು ಕಾಣುತ್ತದೆ ಅಂದನು. ೨೪ ಅದಕ್ಕೆ ಸೀಮೋನನು – ನೀವು
ಹೇಳಿರುವ ಸಂಗತಿಗಳಲ್ಲಿ ಯಾವದೂ ನನ್ನ ಮೇಲೆ ಬಾರದಂತೆ ನನಗೋಸ್ಕರ ನೀವೇ
ಕರ್ತನನ್ನು ಬೇಡಿ ಕೊಳ್ಳಿರಿ ಎಂದು ಹೇಳಿದನು. ೨೫ ಹೀಗಿರಲಾಗಿ ಅವರು ಕರ್ತನ ವಾಕ್ಯವನ್ನು
ಪ್ರಮಾಣಪೂರ್ವಕವಾಗಿ ಹೇಳಿದ ಮೇಲೆ ಯೆರೂಸಲೇಮಿಗೆ ಹಿಂತಿರುಗಿ ಹೊರಟು
ಸಮಾರ್ಯದವರ ಅನೇಕ ಊರುಗಳಲ್ಲಿ ಸುವಾರ್ತೆಯನ್ನು ಸಾರಿದರು.

## ಫಿಲಿಪ್ಪನು ಐಥಿಯೋಪ್ಯದವನಿಗೆ ಸುವಾರ್ತೆಯನ್ನು ತಿಳಿಸಿದ್ದು

೨೬ ಅಷ್ಟರಲ್ಲಿ ಅಷ್ಟರಲ್ಲಿ ಕರ್ತನ ದೂತನು ಫಿಲಿಪ್ಪನಿಗೆ – ನೀನು ಎದ್ದು ದಕ್ಷಿಣ ಕಡೆಗೆ
ಯೆರೂಸಲೇಮಿನಿಂದ ಗಾಜಕ್ಕೆ ಹೋಗುವ ದಾರಿಯಲ್ಲಿ ಹೋಗು, ಅದು ಅಡವಿ ಎಂದು
ಹೇಳಿದನು. ೨೭ ಅವನು ಎದ್ದು ಹೊರಟು ಹೋದನು; ಹೋಗುತ್ತಿರುವಾಗ ಐಥಿಯೋಪ್ಯ ದೇಶದ
ಒಬ್ಬ ಮನುಷ್ಯನನ್ನು ಕಂಡನು. ಅವನು ಕಂಚುಕಿಯೂ ಐಥಿಯೋಪ್ಯದವರ ರಾಣಿಯಾಗಿದ್ದ
ಕಂದಾಕೆಯ ಕೈಕೆಳಗೆ ದೊಡ್ಡ ಅಧಿಕಾರಿಯೂ ಆಕೆಯ ಎಲ್ಲಾ ಖಜಾನೆಯ ಮೇಲ್ವಿಚಾರಕನೂ
ಆಗಿದ್ದನು. ೨೮ ಅವನು ದೇವಾರಾಧನೆಗೋಸ್ಕರ ಯೆರೂಸಲೇಮಿಗೆ ಬಂದು ಹಿಂತಿರುಗಿ
ಹೋಗುವಾಗ ತನ್ನ ರಥದಲ್ಲಿ ಕೂತುಕೊಂಡು ಯೆಶಾಯ ಪ್ರವಾದಿಯ ಗ್ರಂಥವನ್ನು ಓದುತ್ತಿದ್ದನು.
೨೯ ದೇವರಾತ್ಮನು ಫಿಲಿಪ್ಪನಿಗೆ – ನೀನು ಆ ರಥದ ಹತ್ತಿರ ಹೋಗಿ ಅದರ ಸಂಗಡಲೇ ನಡೆ ಎಂದು
ಹೇಳಿದನು. ೩೦ ಫಿಲಿಪ್ಪನು ಓಡಿಹೋಗಿ ಆ ಮನುಷ್ಯನು ಯೆಶಾಯ ಪ್ರವಾದಿಯ ಗ್ರಂಥವನ್ನು
ಓದುತ್ತಿರುವದನ್ನು ಕೇಳಿ – ಎಲೈ, ನೀನು ಓದುವದು ನಿನಗೆ ತಿಳಿಯುತ್ತದೋ? ೩೧ ಅನ್ನಲು
ಅವನು – ಯಾರಾದರೂ ನನಗೆ ಅರ್ಥ ತಿಳಿಸಿಕೊಟ್ಟ ಹೊರತು ಅದು ನನಗೆ ಹೇಗೆ ತಿಳಿದೀತು
ಎಂದು ಹೇಳಿ – ನೀನು ರಥವನ್ನು ಹತ್ತಿ ನನ್ನ ಬಳಿಯಲ್ಲಿ ಕೂತುಕೋ ಎಂಬದಾಗಿ ಫಿಲಿಪ್ಪನನ್ನು
ಕೇಳಿಕೊಂಡನು. ೩೨ ಅವನು ಓದುತ್ತಿದ್ದ ಶಾಸ್ತ್ರವಚನವು ಯಾವದಂದರೆ–
ವಧ್ಯಸಸ್ಥಾನಕ್ಕೆ ಒಯ್ಯಲ್ಪಡುವ ಕುರಿಯಂತೆ ಆತನು ಒಯ್ಯಲ್ಪಟ್ಟನು;
ಕುರಿರಮರಿಯು ಉಣ್ಣೆ ಕತ್ತರತಿಸುವವನ ಮುಂದೆ ಮೌನವಾಗಿರುವಂತೆ
ಆತನು ಬಾಯಿ ತೆರೆಯಲೇ ಇಲ್ಲ.
೩೩ ಆತನಿಗುಂಟಾದ ದೀನಾವಸ್ಥೆಯಲ್ಲಿಲ ನ್ಯಾಯವು ಇಲ್ಲದೆದೋಯಿತು.
ಆತನ ಸಕಾಲದವರನ್ನು ಹೇಳತಕ್ಕದ್ದೇನು?
ಆತನ ಜೀವವನ್ನು ಭೂಮಿಯ ಮೇಲಿನಿಂದ ತೆಗೆದುಬಿಟ್ಟರಲ್ಲಾ ಎಂಬದೇ.
೩೪ ಕಂಚುಕಿಯು ಈ ವಚನವನ್ನು ಕುರಿತು – ಪ್ರವಾದಿಯು ಇದನ್ನು ಯಾರ ವಿಷಯದಲ್ಲಿ
ಹೇಳಿದ್ದಾನೆ? ತನ್ನ ವಿಷಯದಲ್ಲಿಯೋ? ಮತ್ತೊಬ್ಬನ ವಿಷಯದಲ್ಲಿಯೂ? ದಯಮಾಡಿ
ಹೇಳಬೇಕು ಎಂದು ಫಿಲಿಪ್ಪನನ್ನು ಕೇಳಲು ೩೫ ಫಿಲಿಪ್ಪನು ಉಪದೇಶಿಸುವದಕ್ಕೆ ತೊಡಗಿ ಅದೇ
ವಚನವನ್ನು ಆಧಾರಮಾಡಿಕೊಂಡು ಅವನಿಗೆ ಯೇಸುವಿನ ವಿಷಯವಾದ ಸುವಾರ್ತೆಯನ್ನು
ತಿಳಿಸಿದನು. ೩೬ ಅವರು ದಾರಿಯಲ್ಲಿ ಹೋಗುತ್ತಿರುವಾಗ ನೀರಿನ ಬಳಿಗೆ ಬಂದರು.
೩೭ ಕಂಚುಕಿಯು – ಆಗೋ, ನೀರು; ನನಗೆ ದೀಕ್ಷಾಸ್ನಾನವಾಗುವದಕ್ಕೆ ಅಡ್ಡಿ ಏನು ಎಂದು
ಹೇಳಿ ರಥವನ್ನು ನಿಲ್ಲಿಸು ಎಂದು ಅಪ್ಪಣೆ ಕೊಟ್ಟನು; ೩೮ ಫಿಲಿಪ್ಪನು ಕಂಚುಕಿಯು ಇಬ್ಬರೂ
ನೀರಿನೊಳಗೆ ಇಳಿದರು. ಫಿಲಿಪ್ಪನು ಅವನಿಗೆ ದೀಕ್ಷಾಸ್ನಾನ ಮಾಡಿಸಿದನು. ೩೯ ಅವರು ನೀರನ್ನು
ಬಿಟ್ಟು ಮೇಲಕ್ಕೆ ಬಂದಾಗ ಕರ್ತನ ಆತ್ಮ ಫಿಲಿಪ್ಪನನ್ನು ಎತ್ತಿ ಕೊಂಡುಹೋಗಲಾಗಿ ಕಂಚುಕಿಯು
ಸಂತೋಷವುಳ್ಳವನಾಗಿ ತನ್ನ ದಾರಿಯನ್ನು ಹಿಡಿದು ಅವನನ್ನು ಕಾಣಲೇ ಇಲ್ಲ. ೪೦ ತರುವಾಯ
ಫಿಲಿಪ್ಪನು ಅಜೋತಿನಲ್ಲಿ ಕಾಣಿಸಿಕೊಂಡು ಅಲ್ಲಿಂದ ಕೈಸರೈಯದ ತನಕ ಎಲ್ಲಾ ಊರುಗಳಲ್ಲಿ
ಸುವಾರ್ತೆಯನ್ನು ಸಾರುತ್ತಾ ಹೋದನು.

## ಸಭೆಯವರನ್ನು ಹಿಂಸೆಪಡಿಸಿದ ಪೌಲನು ತಾನೇ ಯೇಸುವಿನ ಶಿಷ್ಯನಾದದ್ದು

೯ ೧ ಸೌಲನು ಇನ್ನು ಕರ್ತನ ಶಿಷ್ಯರ ಮೇಲೆ ರೌದ್ರನಾಗಿದ್ದು ಬೆದರಿಕೆಯ ಮಾತುಗಳನ್ನಾಡುತ್ತಾ
ಅವರನ್ನು ಸಂಹರಿಸಬೇಕೆಂದು ಆಶೆಪಡುತ್ತಾ ಮಹಾಯಾಜಕನ ಬಳಿಗೆ ಹೋಗಿ –
೨ ಆ ಮಾರ್ಗವನ್ನು ಹಿಡಿದವರು ಯಾರಾದರೂ ಸಿಕ್ಕಿದರೆ ಅವರು ಗಂಡಸರಾದರೂ ಸರಿಯೇ
ಹೆಂಗಸರಾದರೂ ಸರಿಯೇ ನಾನು ಅವರಿಗೆ ಬೇಡಿಹಾಕಿಸಿ ಯೆರೂಸಲೇಮಿಗೆ ತರುವಂತೆ
ದಮಸ್ಕದಲ್ಲಿರುವ ಆಯಾ ಸಭಾಮಂದಿರದವರಿಗೆ ನೀನು ಕಾಗದವನ್ನು ಕೊಡಬೇಕು ಎಂದು
ಅವನನ್ನು ಬೇಡಿಕೊಂಡನು. ೩ ಅವನು ಪ್ರಯಾಣ ಮಾಡುತ್ತಾ ದಮಸ್ಕದ ಹತ್ತಿರಕ್ಕೆ ಬರಲು ಫಕ್ಕನೆ
ಆಕಾಶದೊಳಗಿಂದ ಒಂದು ಬೆಳಕು ಅವನ ಸುತ್ತಲು ಮಿಂಚಿತು. ೪ ಅವನು ನೆಲಕ್ಕೆ ಬಿದ್ದು –
ಸೌಲನೇ, ಸೌಲನೇ, ನನ್ನನ್ನು ಯಾಕೆ ಹಿಂಸೆಪಡಿಸುತ್ತೀ ಎಂದು ಹೇಳುವ ವಾಣಿಯನ್ನು ಕೇಳಿದನು.
೫ ಅವನು – ಕರ್ತನೇ, ನೀನಾರು ಎಂದು ಕೇಳಿದ್ದಕ್ಕೆ ಕರ್ತನು – ನೀನು ಹಿಂಸೆಪಡಿಸುವ
ಯೇಸುವೇ ನಾನು. ೬ ನೀನೆದ್ದು ಊರೊಳಕ್ಕೆ ಹೋಗು, ನೀನು ಮಾಡಬೇಕಾದದ್ದು ಅಲ್ಲಿ ನಿನಗೆ
ತಿಳಿಸಲ್ಪಡುವದು ಎಂದು ಹೇಳಿದನು. ೭ ಅವನ ಜೊತೆಯಲ್ಲಿ ಪ್ರಯಾಣ ಮಾಡುತ್ತಿದ್ದವರು
ಧ್ವನಿಯನ್ನು ಮಾತ್ರ ಕೇಳಿ ಯಾರನ್ನೂ ಕಾಣದೆ ಮೂಕರಂತೆ ನಿಂತರು. ೮ ಸೌಲನು ನೆಲದಿಂದ
ಎದ್ದು ಕಣ್ಣು ತೆರೆದಾಗ ಏನೂ ಕಾಣಿಸಲಿಲ್ಲ. ಆಗ ಅವರು ಅವನನ್ನು ಕೈಹಿಡಿದು ದಮಸ್ಕದೊಳಕ್ಕೆ
ಕರೆದುಕೊಂಡು ಹೋದರು. ೯ ಅವನು ಮೂರು ದಿವಸ ಕಣ್ಣುಕಾಣದೆ ಏನೂ ತಿನ್ನಲಿಲ್ಲ, ಏನೂ
ಕುಡಿಯಲಿಲ್ಲ.

೧೦ ದಮಸ್ಕದಲ್ಲಿ ಅನನೀಯನೆಂಬ ಒಬ್ಬ ಶಿಷ್ಯನಿದ್ದನು; ಕರ್ತನು ದರ್ಶನದಲ್ಲಿ – ಅನನೀಯನೇ, ಎಂದು ಅವನನ್ನು ಕರೆಯಲು ಅವನು – ಕರ್ತನೇ, ಇಗೋ, ಇದ್ದೇನೆ ಅಂದನು.

೧೧ ಕರ್ತನು ಅವನಿಗೆ – ನೀನೆದ್ದು ನೆಟ್ಟನೇಬೀದಿ ಎಂಬ ಬೀದಿಗೆ ಹೋಗಿ ಯೂದನ ಮನೆಯಲ್ಲಿ ತಾರ್ಸದ ಸೌಲನೆಂಬವನನ್ನು ವಿಚಾರಿಸು; ಅವನು ಪ್ರಾರ್ಥನೆಮಾಡುತ್ತಾನೆ.

೧೨ ಮತ್ತು ಅನನೀಯನೆಂಬ ಒಬ್ಬ ಮನುಷ್ಯನು ಒಳಗೆ ಬಂದು ತನಗೆ ತಿರಿಗಿ ಕಣ್ಣು ಕಾಣುವಂತೆ ತನ್ನ ಮೇಲೆ ಕೈಯಿಡುವದನ್ನು ನೋಡಿದ್ದಾನೆ ಎಂದು ಹೇಳಿದನು.

೧೩ ಅದಕ್ಕೆ ಅನನೀಯನು – ಕರ್ತನೇ, ಆ ಮನುಷ್ಯನು ಯೆರೂಸಲೇಮಿನಲ್ಲಿ ನಿನ್ನನ್ನು ನಂಬಿದ ದೇವಜನರಿಗೆ ಎಷ್ಟೋ ಕೇಡನ್ನುಂಟುಮಾಡಿದನೆಂದು ಅವನ ವಿಷಯವಾಗಿ ಅನೇಕರಿಂದ ಕೇಳಿದ್ದೇನೆ;

೧೪ ಮತ್ತು ಇಲ್ಲಿಯೂ ನಿನ್ನ ಹೆಸರನ್ನು ಸ್ಮರಿಸುವವರೆಲ್ಲರಿಗೆ ಬೇಡಿಹಾಕಿಸುವ ಅಧಿಕಾರವನ್ನು ಮಹಾಯಾಜಕರಿಂದ ಹೊಂದಿದ್ದಾನೆ ಅಂದನು.

೧೫ ಕರ್ತನು ಅವನಿಗೆ – ನೀನು ಹೋಗು; ಆ ಮನುಷ್ಯನು ಅನ್ಯಜನರಿಗೂ ಅರಸುಗಳಿಗೂ ಇಸ್ರಾಯೇಲ್ಯರಿಗೂ ನನ್ನ ಹೆಸರನ್ನು ತಿಳಿಸುವದಕ್ಕಾಗಿ ನಾನು ಆರಿಸಿಕೊಂಡ ಸಾಧನವಾಗಿದ್ದಾನೆ.

೧೬ ಅವನು ನನ್ನ ಹೆಸರಿನ ನಿಮಿತ್ತ ಎಷ್ಟು ಹಿಂಸೆ ಅನುಭವಿಸಬೇಕೆಂಬದನ್ನು ನಾನೇ ಅವನಿಗೆ ತೋರಿಸುವೆನು ಎಂದು ಹೇಳಿದನು.

೧೭ ಆಗ ಅನನೀಯನು ಹೊರಟು ಆ ಮನೆಯೊಳಗೆ ಹೋಗಿ ಅವನ ಮೇಲೆ ತನ್ನ ಕೈಗಳನ್ನಿಟ್ಟು – ಸಹೋದರನಾದ ಸೌಲನೇ, ನೀನು ಬಂದ ದಾರಿಯಲ್ಲಿ ನಿನಗೆ ಕಾಣಿಸಿಕೊಂಡ ಕರ್ತನಾದ ಯೇಸು ನಿನಗೆ ಕಣ್ಣು ಕಾಣುವಂತೆಯೂ ನೀನು ಪವಿತ್ರಾತ್ಮಭರಿತನಾಗುವಂತೆಯೂ ನನ್ನನ್ನು ನಿನ್ನ ಬಳಿಗೆ ಕಳುಹಿಸಿದ್ದಾನೆ ಎಂದು ಹೇಳಿದನು.

೧೮ ಕೂಡಲೇ ಅವನ ಕಣ್ಣುಗಳಿಂದ ಪರೆಗಳಂತೆ ಏನೋ ಬಿದ್ದು ಅವನ ಕಣ್ಣು ಕಾಣಿಸಿದವು.

೧೯ ಅವನು ಎದ್ದು ದೀಕ್ಷಾಸ್ನಾನಮಾಡಿಸಿಕೊಂಡನು. ತರುವಾಯ ಊಟಮಾಡಿ
ಬಲಹೊಂದಿದನು. ೨೦ ಮುಂದೆ ಅವನು ದಮಸ್ಕದಲ್ಲಿದ್ದ ಶಿಷ್ಯರ ಸಂಗಡ ಕೆಲವು ದಿವಸ ಇದ್ದು
ತಡಮಾಡದೆ ಸಭಾಮಂದಿರಗಳಲ್ಲಿ ಯೇಸುವಿನ ವಿಷಯವಾಗಿ ಆತನೇ ದೇವಕುಮಾರನೆಂದು
ಸಾರುವದಕ್ಕೆ ಪ್ರಾರಂಭಮಾಡಿದನು. ೨೧ ಕೇಳಿದವರೆಲ್ಲರು ಬೆರಗಾಗಿ – ಈ ಹೆಸರು ಹೇಳುವವರನ್ನು
ಯೆರೂಸಲೇಮಿನಲ್ಲಿ ಹಾಳುಮಾಡಿದವನು ಇವನಲ್ಲವೇ. ಅಂಥವರನ್ನು ಬೇಡಿಹಾಕಿಸಿ
ಮಹಾಯಾಜಕರ ಬಳಿಗೆ ತೆಗೆದುಕೊಂಡು ಹೋಗಬೇಕೆಂದೇ ಇಲ್ಲಿಗೆ ಬಂದನಲ್ಲವೇ
ಎಂದು ಮಾತಾಡಿಕೊಂಡರು. ೨೨ ಆದರೆ ಸೌಲನು ಇನ್ನೂ ಅಧಿಕ ಸಾಮರ್ಥ್ಯವುಳ್ಳವನಾಗಿ
ಯೇಸುವೇ ಕ್ರಿಸ್ತನೆಂದು ಸಿದ್ಧಾಂತಪಡಿಸಿ ದಮಸ್ಕದಲ್ಲಿದ್ದ ಯೆಹೂದ್ಯರನ್ನು ಉತ್ತರವಿಲ್ಲದವರಾಗ
ಮಾಡಿದನು. ೨೩ ಅನೇಕ ದಿವಸಗಳು ಹೋದ ಮೇಲೆ ಯೆಹೂದ್ಯರು ಅವನನ್ನು ಕೊಲ್ಲಬೇಕೆಂದು

ಆಲೋಚನೆಮಾಡಿ ಕೊಂಡರು. ೨೪ ಅವರ ಆಲೋಚನೆಯು ಸೌಲನಿಗೆ ತಿಳಿಯಬಂತು. ಅವನನ್ನು
ಕೊಲ್ಲುವದಕ್ಕಾಗಿ ಅವರು ಹಗಲಿರುಳೂ ಪಟ್ಟಣದ ಬಾಗಿಲುಗಳನ್ನು ಕಾಯುತ್ತಿದ್ದರು. ೨೫ ಆದರೆ
ಅವನ ಶಿಷ್ಯರು ರಾತ್ರಿಕಾಲದಲ್ಲಿ ಅವನನ್ನು ಕರೆದುಕೊಂಡುಹೋಗಿ ಒಂದು ಹೆಡಿಗೆಯಲ್ಲಿ
ಕೂಡ್ರಿಸಿ ಗೋಡೆಯೊಳಗಿಂದ ಇಳಿಸಿದರು. ೨೬ ಅವನು ಯೆರೂಸಲೇಮಿಗೆ ಬಂದು
ಶಿಷ್ಯರೊಳಗೆ ಸೇರಿಕೊಳ್ಳಬೇಕೆಂದು ಪ್ರಯತ್ನಮಾಡಿದಾಗ ಎಲ್ಲರು ಅವನನ್ನು ಶಿಯನೆಂದು
ನಂಬದೆ ಅವನಿಗೆ ಭಯಪಟ್ಟರು. ೨೭ ಆದರೆ ಬಾರ್ನಬನು ಅವನನ್ನು ಕೈಹಿಡಿದು ಅಪೊಸ್ತಲರ
ಬಳಿಗೆ ಕರೆದುಕೊಂಡುಹೋಗಿ ಅವನು ದಾರಿಯಲ್ಲಿ ಕರ್ತನನ್ನು ಕಂಡದ್ದನ್ನೂ ಕರ್ತನು ಅವನ ಸಂಗಡ
ಮಾತಾಡಿದ್ದನ್ನೂ ದಮಸ್ಕದೊಳಗೆ ಯೇಸುವಿನ ಹೆಸರಿನಲ್ಲಿ ಧೈರ್ಯದಿಂದ ಮಾತಾಡಿದ್ದನ್ನೂ
ಅವರಿಗೆ ವಿವರವಾಗಿ ಹೇಳಿದನು. ೨೮ ಆ ಮೇಲೆ ಅವನು ಯೆರೂಸಲೇಮಿನಲ್ಲಿದ್ದುಕೊಂಡು
ಅವರಲ್ಲಿ ಬರುತ್ತಾ ಹೋಗುತ್ತಾ ಕರ್ತನ ಹೆಸರಿನಲ್ಲಿ ಧೈರ್ಯದಿಂದ ಬೋಧಿಸಿದನು. ೨೯ ಮತ್ತು
ಗ್ರೀಕ್ ಭಾಷೆಯನ್ನಾಡುವ ಯೆಹೂದ್ಯರ ಸಂಗಡ ಮಾತಾಡಿ ತರ್ಕಿಸುತ್ತಿದ್ದನು. ಆದರೆ ಅವರು
ಅವನನ್ನು ಕೊಲ್ಲುವದಕ್ಕೆ ಪ್ರಯತ್ನಮಾಡಿದರು. ೩೦ ಇದು ಸಹೋದರರಿಗೆ ತಿಳಿದು ಬರಲು
ಅವರು ಅವನನ್ನು ಕೈಸರೈಯಕ್ಕೆ ಕರಕೊಂಡುಹೋಗಿ ಅಲ್ಲಿಂದ ತಾರ್ಸಕ್ಕೆ ಕಳುಹಿಸಿದರು.
೩೧ ಹೀಗಿರಲಾಗಿ ಯೂದಾಯ ಗಲಿಲಾಯ ಸಮಾರ್ಯ ಸೀಮೆಗಳಲ್ಲಿದ್ದ ಸಭೆಯು ಸಮಾಧಾನ
ಹೊಂದಿತು; ಮತ್ತು ಭಕ್ತಿಯಲ್ಲಿ ಬೆಳೆದು ಕರ್ತನ ಭಯದಲ್ಲಿ ನಡೆದು ಪವಿತ್ರಾತ್ಮನಿಂದ
ಪ್ರೋತ್ಸಾಹವನ್ನು ಹೊಂದಿ ಹೆಚ್ಚುತ್ತಾ ಬಂತು.

### ಐನೇಯನೆಂಬ ಪಾರ್ಶ್ವವಾಯುರೋಗಿ ಅದ್ಭುತವಾಗಿ ವಾಸಿಯಾದದ್ದು

೩೨ ಪೇತ್ರನು ಎಲ್ಲಾ ಕಡೆಯೂ ಸಂಚಾರಮಾಡುತ್ತಿರುವಾಗ ಲುದ್ದದಲ್ಲಿ ವಾಸಿಯಾಗಿದ್ದ ದೇವಜನರ
ಬಳಿಗೂ ಬಂದನು. ೩೩ ಅಲ್ಲಿ ಪಾರ್ಶ್ವವಾಯುರೋಗಿಯಾಗಿ ಎಂಟು ವರುಷಗಳಿಂದ ಹಾಸಿಗೆಯ
ಮೇಲೆ ಬಿದ್ದಿದ್ದ ಐನೇಯನೆಂಬ ಒಬ್ಬ ಮನುಷ್ಯನನ್ನು ಕಂಡನು. ೩೪ ಪೇತ್ರನು ಅವನಿಗೆ –
ಐನೇಯನೇ, ಯೇಸು ಕ್ರಿಸ್ತನು ನಿನ್ನನ್ನು ವಸಿಮಾಡುತ್ತಾನೆ; ಎದ್ದು ನಿನ್ನ ಹಾಸಿಗೆಯನ್ನು
ಹಾಸಿಕೋ ಎಂದು ಹೇಳಿದನು. ಕೂಡಲೆ ಅವನು ಎದ್ದನು. ೩೫ ಮತ್ತು ಲುದ್ದದಲ್ಲಿಯೂ
ಸಾರೋನಪ್ರಾಂತ್ಯದಲ್ಲಿಯೂ ವಾಸವಾಗಿದ್ದವರೆಲ್ಲರು ಅವನನ್ನು ನೋಡಿದರು, ಮತ್ತು ಅವರು
ಕರ್ತನ ಕಡೆಗೆ ತಿರುಗಿಕೊಂಡರು.

### ಸತ್ತುಹೋಗಿದ್ದ ದೊರ್ಕಳೆಂಬ ಒಬ್ಬ ಶಿಷ್ಯಳನ್ನು ಬದುಕಿಸಿದ್ದು

೩೬ ಯೊಪ್ಪದಲ್ಲಿ ತಬಿಥಾ ಎಂಬ ಒಬ್ಬ ಶಿಷ್ಯಳಿದ್ದಳು. ಆ ಹೆಸರಿಗೆ ಗ್ರೀಕ್ ಭಾಷೆಯಲ್ಲಿ
ದೊರ್ಕ ಎಂದರ್ಥ. ಆಕೆಯು ಸತ್ಕ್ರಿಯೆಗಳನ್ನೂ ಧಾನಧರ್ಮಗಳನ್ನೂ ಬಹಳವಾಗಿ ಮಾಡುತ್ತಿದ್ದಳು.
೩೭ ಆ ಕಾಲದಲ್ಲಿ ಆಕೆ ರೋಗದಲ್ಲಿ ಬಿದ್ದು ಸತ್ತಳು, ಮತ್ತು ಆಕೆಯ ಶವವನ್ನು ತೊಳೆದು
ಮೇಲಂತಸ್ತಿನಲ್ಲಿಟ್ಟರು. ೩೮ ಯೊಪ್ಪಕ್ಕೆ ಲುದ್ದವು ಹತ್ತಿರವಾಗಿರಲಾಗಿ ಪೇತ್ರನು ಅಲ್ಲಿ ಇದ್ದಾನೆಂದು
ಶಿಷ್ಯರು ಕೇಳಿ ಇಬ್ಬರು ಮನುಷ್ಯರನ್ನು ಅವನ ಬಳಿಗೆ ಕಳುಹಿಸಿ – ತಡಮಾಡದೆ ನಮ್ಮ
ತನಕ ಬರಬೇಕೆಂದು ಬೇಡಿಕೊಂಡರು. ೩೯ ಪೇತ್ರನು ಎದ್ದು ಅವರ ಜೊತೆಯಲ್ಲಿ ಹೋದನು.
ಅವನು ಬಂದ ಕೂಡಲೆ ಅವರು ಅವನನ್ನು ಮೇಲಂತಸ್ತಿಗೆ ಕರೆದುಕೊಂಡು ಹೋದರು. ಅಲ್ಲಿ
ವಿಧವೆಯರೆಲ್ಲರು ಅಳುತ್ತಾ ಅವನ ಹತ್ತಿರ ನಿಂತುಕೊಂಡು ದೊರ್ಕಳು ತಮ್ಮ ಸಂಗಡ ಇದ್ದಾಗ
ಮಾಡಿಕೊಟ್ಟಿದ್ದ ಒಳಂಗಿಗಳನ್ನೂ ಮೇಲಂಗಿಗಳನ್ನೂ ತೋರಿಸಿದರು. ೪೦ ಪೇತ್ರನು ಅವರೆಲ್ಲರನ್ನು
ಹೊರಕ್ಕೆ ಕಳುಹಿಸಿ ಮೊಣಕಾಲೂರಿ ಪ್ರಾರ್ಥನೆಮಾಡಿ ಶವದ ಕಡೆಗೆ ತಿರುಗಿ ಕೊಂಡು – ತಬಿಥಾ,
ಏಳು ಅಂದನು. ಆಕೆಯು ಕಣ್ಣು ತೆರೆದು ಪೇತ್ರನನ್ನು ನೋಡಿ ಎದ್ದು ಕೂತುಕೊಂಡಳು ೪೧ ಅವನು
ಆಕೆಯನ್ನು ಕೈಕೊಟ್ಟು ಎಬ್ಬಿಸಿ ದೇವಜನರನ್ನೂ ಕರೆದು ಜೀವಿತಳಾದ ಆಕೆಯನ್ನು ಅವರೆದುರಿಗೆ
ನಿಲ್ಲಿಸಿದನು. ೪೨ ಈ ಸಂಗತಿಯು ಯೊಪ್ಪದಲ್ಲೆಲ್ಲಾ ತಿಳಿಯಬಂದು ಅನೇಕರು ಕರ್ತನ ಮೇಲೆ
ನಂಬಿಕೆಯಿಟ್ಟರು. ೪೩ ಆ ಮೇಲೆ ಪೇತ್ರನು ಯೊಪ್ಪದಲ್ಲಿ ಚರ್ಮಕಾರನಾದ ಸೀಮೋನನೆಂಬವನ
ಬಳಿಯಲ್ಲಿ ಬಹಳ ದಿವಸದ ವರೆಗೂ ಇದ್ದನು.

## ಅನ್ಯಜನರಿಗೆ ಕ್ರಿಸ್ತನ ಸುವಾರ್ತೆಯನ್ನು ತಿಳಿಸುವದಕ್ಕೆ ಪೇತ್ರನು ಅಪ್ಪಣೆಹೊಂದಿದ್ದು, ಅವರಲ್ಲಿ ಕೊರ್ನೇಲ್ಯನೆಂಬವನು ನಂಬಿ ದೀಕ್ಷಾಸ್ನಾನಮಾಡಿಸಿಕೊಂಡಿದ್ದು

೧೦ [೧]ಕೈಸರ್ಯೆಯದಲ್ಲಿ ಇತಾಲ್ಯದ ಪಟಾಲಮೆನಿಸಿಕೊಳ್ಳುವ ಒಂದು ಪಟಾಲಮಿನ
ಶತಾಧಿಪತಿಯಾದ ಕೊರ್ನೇಲ್ಯನೆಂಬ ಒಬ್ಬ ಮನುಷ್ಯನಿದ್ದನು. [೨]ಅವನು ಭಕ್ತನೂ ತನ್ನ
ಮನೆಯವರೆಲ್ಲರ ಸಹಿತವಾಗಿ ದೇವರಿಗೆ ಭಯಪಡುವವನೂ ಆಗಿದ್ದು ಜನರಿಗೆ ಬಹಳವಾಗಿ
ದಾನಧರ್ಮಮಾಡುತ್ತಾ ದೇವರಿಗೆ ನಿತ್ಯವೂ ಪ್ರಾರ್ಥನೆಮಾಡುತ್ತಾ ಇದ್ದನು. [೩]ಮಧ್ಯಾಹ್ನದ ಮೇಲೆ
ಸುಮಾರು ಮೂರು ಘಂಟೆಗೆ ಅವನಿಗೆ ಒಂದು ದರ್ಶನ ಉಂಟಾಗಿ ಒಬ್ಬ ದೇವದೂತನು ತನ್ನ
ಬಳಿಗೆ ಬಂದು – ಕೊರ್ನೇಲ್ಯನೇ ಎಂದು ಕರೆಯುವದನ್ನು ಅವನು ಪ್ರತ್ಯಕ್ಷವಾಗಿ ಕಂಡನು. [೪]ಅವನು
ಆ ದೂತನನ್ನು ದೃಷ್ಟಿಸಿನೋಡಿ ಭಯಹಿಡಿದವನಾಗಿ – ಏನು ಸ್ವಾಮೀ ಎಂದು ಕೇಳಲು ದೂತನು
ಅವನಿಗೆ – ನಿನ್ನ ಪ್ರಾರ್ಥನೆಗಳೂ ನಿನ್ನ ದಾನಧರ್ಮಗಳೂ ದೇವರ ಮುಂದೆ ಜ್ಞಾಪಕಾರ್ಥವಾಗಿ
ಏರಿ ಬಂದವು. [೫]ಈಗ ನೀನು ಯೊಪ್ಪಕ್ಕೆ ಜನರನ್ನು ಕಳುಹಿಸಿ ಪೇತ್ರನೆನಿಸಿಕೊಳ್ಳುವ
ಸೀಮೋನನನ್ನು ಕರೆಯಿಸಬೇಕು. [೬]ಅವನು ಚರ್ಮಕಾರನಾದ ಸೀಮೋನನ ಮನೆಯು
ಸಮುದ್ರದ ಬಳಿಯಲ್ಲಿ ಅದೆ ಎಂದು ಹೇಳಿದನು. [೭]ಕೊರ್ನೇಲ್ಯನು ತನ್ನ ಸಂಗಡ ಮಾತಾಡಿದ
ದೇವದೂತನು ಹೊರಟುಹೋದ ಮೇಲೆ ತನ್ನ ಪರಿಚಾರಕರಲ್ಲಿ ಇಬ್ಬರನ್ನೂ ತನ್ನ ಹತ್ತಿರ
ಯಾವಾಗಲೂ ಇರುತ್ತಿದ್ದ ಸಿಪಾಯಿಗಳಲ್ಲಿ ಒಬ್ಬ ದೇವಭಕ್ತನನ್ನೂ ಕರೆದು [೮]ಅವರಿಗೆ ಈ
ಸಂಗತಿಗಳನ್ನೆಲ್ಲಾ ವಿವರವಾಗಿ ಹೇಳಿ ಅವರನ್ನು ಯೊಪ್ಪಕ್ಕೆ ಕಳುಹಿಸಿದನು. [೯]ಮರುದಿನ
ಅವರು ಪ್ರಯಾಣಮಾಡಿ ಆ ಊರಿನ ಹತ್ತಿರಕ್ಕೆ ಬರುತ್ತಿರುವಾಗ ಪೇತ್ರನು ಸುಮಾರು ಮಧ್ಯಾಹ್ನದಲ್ಲಿ
ಪ್ರಾರ್ಥನೆಮಾಡುವದಕ್ಕಾಗಿ ಮಾಳಿಗೆಯನ್ನು ಹತ್ತಿದನು.

[೧೦]ಅವನು ಬಹಳ ಹಸಿದು ಊಟಮಾಡಬೇಕೆಂದಿದ್ದನು. ಊಟಕ್ಕೆ ಸಿದ್ಧವಾಗುತ್ತಿರುವಷ್ಟರಲ್ಲಿ

[೧೧]ಅವನು ಧ್ಯಾನಪರವಶನಾಗಿ ಆಕಾಶವು ತೆರೆದಿರುವದನ್ನೂ ನಾಲ್ಕು ಮೂಲೆಗಳನ್ನು ಹಿಡಿದಿದ್ದ ದೊಡ್ಡ ಜೋಳಿಗೆಯಂತಿರುವ ಏನೋ ಒಂದು ವಸ್ತುವು ಭೂಮಿಯ ಮೇಲೆ ಇಳಿಯುವದನ್ನೂ ಕಂಡನು.

[೧೨]ಅದರೊಳಗೆ ಸಕಲ ವಿಧವಾದ ಪಶುಗಳೂ ನೆಲದ ಮೇಲೆ ಹರಿದಾಡುವ ಕ್ರಿಮಿಕೀಟಗಳೂ ಅಂತರಕ್ಷದಲ್ಲಿ ಹಾರಾಡುವ ಹಕ್ಕಿಗಳೂ ಇದ್ದವು.

[೧೩]ಆಗ – ಪೇತ್ರನೇ, ಎದ್ದು ಕೊಯ್ದು ತಿನ್ನು ಎಂದು ಅವನಿಗೆ ಒಂದು ವಾಣಿ ಕೇಳಿಸಿತು.

[೧೪]ಅದಕ್ಕೆ ಪೇತ್ರನು – ಬೇಡವೇ ಬೇಡ ಸ್ವಾಮೀ, ನಾನು ಎಂದೂ ಹೊಲೆ ಪದಾರ್ಥವನ್ನಾಗಲಿ ಅಶುದ್ಧ ಪದಾರ್ಥವನ್ನಾಗಲಿ ತಿಂದವನಲ್ಲ ಅಂದನು.

[೧೫]ದೇವರು ಶುದ್ಧಮಾಡಿದ್ದನ್ನು ನೀನು ಹೊಲೆ ಎನ್ನಬೇಡವೆಂದು ತಿರಿಗಿ ಎರಡನೆಯ ಸಾರಿ ಅವನಿಗೆ ವಾಣಿ ಕೇಳಿಸಿತು. ಹೀಗೆ ಮೂರು ಸಾರಿ ಆಯಿತು.

[೧೬]ಆದ ಕೂಡಲೆ ಆ ವಸ್ತುವು ಆಕಾಶದೊಳಗೆ ಸೇರಿಕೊಂಡಿತು.

[೧೭]ಪೇತ್ರನು ತನಗಾದ ದರ್ಷನವು ಏನಾಗಿರಬಹುದೆಂದು ತನ್ನಲ್ಲಿ ಕಳವಳ ಪಡುತ್ತಿರುವಾಗಲೇ ಕೊರ್ನೇಲ್ಯನು ಕಳುಹಿಸಿದ್ದ ಆ ಮನುಷ್ಯರು ಸೀಮೋನನ ಮನೆಯಾವದು ಎಂದು ಕೇಳಿಕೊಂಡು ಬಂದು ಆ ಮನೆಯ ಬಾಗಿಲಲ್ಲಿ ನಿಂತು –

[೧೮]ಪೇತ್ರನೆನಿಸಿಕೊಳ್ಳುವ ಸೀಮೋನನು ಇಲ್ಲಿ ಇಳುಕೊಂಡಿದ್ದಾನೋ ಎಂದು ಕೂಗಿ ಕೇಳಿದರು.

[೧೯]ಪೇತ್ರನು ಆ ದರ್ಶನದ ವಿಷಯದಲ್ಲಿ ಆಲೋಚನೆ ಮಾಡುತ್ತಿರಲು ದೇವರಾತ್ಮನು ಅವನಿಗೆ
– ಅಗೋ, ಇಬ್ಬರು ಮನುಷ್ಯರು ನಿನ್ನನ್ನು ವಿಚಾರಿಸುತ್ತಾರೆ; [೨೦]ನೀನೆದ್ದು ಕೆಳಗಿಳಿದು
ಏನೂ ಸಂಶಯ ಪಡದೆ ಅವರ ಜೊತೆಯಲ್ಲಿ ಹೋಗು, ನಾನೇ ಅವರನ್ನು ಕಳುಹಿಸಿದ್ದೇನೆ
ಎಂದು ಹೇಳಿದನು. [೨೧]ಪೇತ್ರನು ಕೆಳಗಿಳಿದು ಆ ಮನುಷ್ಯರ ಬಳಿಗೆ ಬಂದು – ಇಗೋ,
ನೀವು ವಿಚಾರಿಸುವವನು ನಾನೇ; ನೀವು ಬಂದ ಕಾರಣವೇನು ಎಂದು ಕೇಳಲು ಅವರು
– [೨೨]ಕೊರ್ನೇಲ್ಯನೆಂಬ ಒಬ್ಬ ಶತಾಧಿಪತಿ ಇದ್ದಾನೆ. ಅವನು ನೀತಿವಂತನೂ ದೇವರಿಗೆ
ಭಯಪಡುವವನೂ ಯೆಹೂದ್ಯ ಜನರೆಲ್ಲರಿಂದ ಒಳ್ಳೇ ಹೆಸರು ಹೊಂದಿದವನೂ ಆಗಿದ್ದಾನೆ;
ನಿನ್ನನ್ನು ತನ್ನ ಮನೆಗೆ ಕರೇಕಳುಹಿಸಿಕೊಂಡು ನಿನ್ನಿಂದ ಬೋಧನೆಯನ್ನು ಕೇಳಬೇಕೆಂದು
ದೇವದೂತನ ಮುಖಾಂತರವಾಗಿ ಅಪ್ಪಣೆ ಹೊಂದಿದನು ಎಂದು ಹೇಳಿದರು. [೨೩]ಪೇತ್ರನು ಇದನ್ನು
ಕೇಳಿ ಅವರನ್ನು ಒಳಕ್ಕೆ ಕರೆದು ಉಪಚರಿಸಿದನು. ಮರುದಿನ ಅವನು ಎದ್ದು ಅವರ ಜೊತೆಯಲ್ಲಿ

ಹೊರಟನು; ಯೊಪ್ಪದಲ್ಲಿದ್ದ ಸಹೋದರರಲ್ಲಿ ಕೆಲವರು ಅವನ ಕೂಡ ಹೋದರು. ೨೪ ಮರುದಿನ
ಅವನು ಕೈಸರೈಯಕ್ಕೆ ಸೇರಿದನು. ಕೊರ್ನೇಲ್ಯನು ತನ್ನ ಬಂಧು ಬಳಗದವರನ್ನೂ ಪ್ರಾಣಮಿತ್ರರನ್ನೂ
ಕೂಡ ಕರಿಸಿ ಪೇತ್ರನನ್ನು ಎದುರುನೋಡುತ್ತಿದ್ದನು. ೨೫ ಅವನು ಬಂದಾಗ ಕೊರ್ನೇಲ್ಯನು ಅವನನ್ನು
ಎದುರುಗೊಂಡು ಅವನ ಪಾದಕ್ಕೆ ಬಿದ್ದು ನಮಸ್ಕಾರ ಮಾಡಿದನು. ೨೬ ಆದರೆ ಪೇತ್ರನು – ಏಳಪ್ಪಾ,
ನಾನೂ ಮನುಷ್ಯನು ಎಂದು ಹೇಳಿ ಅವನನ್ನು ಎತ್ತಿ ೨೭ ಅವನ ಸಂಗಡ ಸಂಭಾಷಣೆಮಾಡುತ್ತಾ
ಮನೆಯೊಳಕ್ಕೆ ಬಂದನು. ೨೮ ಅಲ್ಲಿ ಬಹು ಜನರು ಕೂಡಿ ಬಂದಿರುವದನ್ನು ಕಂಡು ಅವರಿಗೆ
– ಯೆಹೂದ್ಯರು ಅನ್ಯ ಜನರ ಕೂಡ ಹೊಕ್ಕುಬಳಕೆಮಾಡುವದು ಯೆಹೂದ್ಯರ ಸಂಪ್ರದಾಯಕ್ಕೆ
ವಿರುದ್ಧವಾಗಿದೆ ಎಂದು ನೀವು ಬಲ್ಲಿರಷ್ಟೆ. ನನಗಂತೂ ಯಾವ ಮನುಷ್ಯನನ್ನಾದರೂ ಹೊಲೆಯನು
ಇಲ್ಲವೆ ಅಶುದ್ಧನು ಅನ್ನಬಾರದೆಂದು ದೇವರು ತೋರಿಸಿದ್ದಾನೆ. ೨೯ ಆದಕಾರಣ ನೀವು ನನ್ನನ್ನು
‘ಕರೇಕಳುಹಿಸಿದಾಗ ನಾನು ಯಾವ ಎದುರುಮಾತನ್ನೂ ಹೇಳದೆ ಬಂದೆನು. ಈ ನೀವು ನನ್ನನ್ನು
ಕರಿಸಿದ ಉದ್ದೇಶವೇನು ನನಗೆ ತಿಳಿಸಬೇಕು ಎಂದು ಹೇಳಿದನು. ೩೦ ಅದಕ್ಕೆ ಕೊರ್ನೇಲ್ಯನು
– ನಾನು ನಾಲ್ಕು ದಿವಸಗಳ ಹಿಂದೆ ಮಧ್ಯಾಹ್ನದ ಮೇಲೆ ಮೂರು ಘಂಟೆಗೆ ನಡೆಯತಕ್ಕ ದೇವರ
ಪ್ರಾರ್ತನೆಯನ್ನು ಇಷ್ಟು ಹೊತ್ತಿನ ವರೆಗೂ ನನ್ನ ಮನೆಯಲ್ಲಿ ಮಾಡುತ್ತಿದ್ದಾಗ ಹೊಳೆಯುವ
ವಸ್ತ್ರವನ್ನು ಧರಿಸಿಕೊಂಡಿದ್ದ ಒಬ್ಬ ಮನುಷ್ಯನು ನನ್ನೆದುರಿಗೆ ನಿಂತು ಕೊಂಡು – ಕೊರ್ನೇಲ್ಯನೇ,
೩೧ ನಿನ್ನ ಪ್ರಾರ್ಥನೆಯು ಕೇಳಬಂತು, ನಿನ್ನ ದಾನಧರ್ಮಗಳು ದೇವರ ಸನ್ನಿಧಾನದಲ್ಲಿ ನೆನಪಿಗೆ
ಬಂದವು. ೩೨ ನೀನು ಯೊಪ್ಪಕ್ಕೆ ಕಳುಹಿಸಿ ಪೇತ್ರನೆನಿಸಿಕೊಳ್ಳುವ ಸೀಮೋನನನ್ನು
ಕರಿಸಬೇಕು; ಅವನು ಚರ್ಮಕಾರನಾದ ಸೀಮೋನನ ಮನೆಯಲ್ಲಿ ಇಳುಕೊಂಡಿದ್ದಾನೆ; ಆ ಮನೆ
ಸಮುದ್ರದ ಬಳಿಯಲ್ಲಿ ಅದೆ ಅಂದನು. ೩೩ ನಾನು ತಡಮಾಡದೆ ನಿನ್ನ ಹತ್ತರ ಕಳುಹಿಸಿದೆನು. ನೀನು
ಬಂದದ್ದು ಉಪಕಾರವಾಯಿತು. ಹೀಗಿರುವದರಿಂದ ಕರ್ತನು ನಿನಗೆ ಅಪ್ಪಣೆಕೊಟ್ಟಿರುವ ಎಲ್ಲಾ
ಮಾತುಗಳನ್ನು ಕೇಳುವದಕ್ಕೆ ನಾವೆಲ್ಲರು ಈಗ ದೇವರ ಸನ್ನಿಧಾನದಲ್ಲಿ ಕೂಡಿದ್ದೇವೆ ಅಂದನು.
೩೪ ಆಗ ಪೇತ್ರನು ಉಪದೇಶಮಾಡಲಾರಂಭಿಸಿ ಹೇಳಿದ್ದೇನಂದರೆ – ದೇವರು ಪಕ್ಷಪಾತಿಯಲ್ಲ,
೩೫ ಯಾವ ಜನರಲ್ಲಿಯಾದರೂ ದೇವರಿಗೆ ಭಯಪಟ್ಟು ನೀತಿಯನ್ನು ನಡಿಸುವವರು ಆತನಿಗೆ
ಮೆಚ್ಚಿಗೆಯಾಗಿದ್ದಾರೆಂದು ಈಗ ಸಂದೇಹವಿಲ್ಲದೆ ನನಗೆ ತಿಳಿದುಬಂದಿದೆ. ೩೬ ಎಲ್ಲಾ
ಜನಗಳಿಗೂ ಕರ್ತನಾಗಿರುವ ಯೇಸುಕ್ರಿಸ್ತನ ಮೂಲಕ ದೇವರು ಸಮಾಧಾನದ ಶುಭಸಮಾಚಾರವನ್ನು
ಪ್ರಕಟಿಸುತ್ತಾ ಇಸ್ರಾಯೇಲ್ ಜನರಿಗೆ ಅನುಗ್ರಹಿಸಿದ ವಾಕ್ಯವು ನಿಮಗೇ ತಿಳಿದಿರುವದು.
೩೭ ದೀಕ್ಷಾಸ್ನಾನಮಾಡಿಸಿಕೊಳ್ಳಬೇಕೆಂದು ಯೋಹಾನನು ಸಾರಿದ ತರುವಾಯ ಈ ವಾಕ್ಯವು
ಗಲಿಲಾಯದಿಂದ ಪ್ರಾರಂಭವಾಗಿ ಯೂದಾಯದಲ್ಲೆಲ್ಲಾ ಪ್ರವಬಲವಾಯಿತು. ೩೮ ದೇವರು
ನಜರೇತಿನ ಯೇಸುವನ್ನು ಪವಿತ್ರಾತ್ಮದಿಂದಲೂ ಬಲದಿಂದಲೂ ಅಭಿಷೇಕಿಸಿದನು;
ದೇವರು ಆತನ ಸಂಗಡ ಇದ್ದದರಿಂದ ಆತನು ಉಪಕಾರಗಳನ್ನು ಮಾಡುತ್ತಾ ಸೈತಾನನಿಂದ
ಬಾಧಿಸಲ್ಪಡುತ್ತಿರುವವರೆಲ್ಲರನ್ನು ಗುಣಮಾಡುತ್ತಾ ಸಂಚರಿಸಿದನು; ಇದೆಲ್ಲಾ ನಿಮಗೆ
ಗೊತ್ತಾಗಿರುವದಷ್ಟೆ. ೩೯ ಆತನು ಯೆಹೂದ್ಯರ ಸೀಮೆಯಲ್ಲಿಯೂ ಯೆರೂಸಲೇಮಿನಲ್ಲಿಯೂ
ಮಾಡಿದ ಎಲ್ಲಾ ಕಾರ್ಯಗಳಿಗೆ ನಾವು ಸಾಕ್ಷಿಗಳಾಗಿದ್ದೇವೆ. ೪೦ ಆತನನ್ನು ಮರದ ಕಂಭಕ್ಕೆ
ತೂಗಹಾಕಿ ಕೊಂದರು. ೪೧ ದೇವರು ಆತನನ್ನು ಮೂರನೆಯ ದಿನದಲ್ಲಿ ಎಬ್ಬಿಸಿ ಪ್ರತ್ಯಕ್ಷನಾಗುವಂತೆ
ಮಾಡಿದನು; ಆತನು ಎಲ್ಲರಿಗೆ ಪ್ರತ್ಯಕ್ಷನಾಗದೆ ದೇವರು ಮುಂಚಿತವಾಗಿ ಆರಿಸಿಕೊಂಡಿದ್ದ
ಸಾಕ್ಷಿಗಳಾದ ನಮಗೆ ಪ್ರತ್ಯಕ್ಷನಾದನು. ಆತನು ಸತ್ತವರೊಳಗಿಂದ ಜೀವಿತನಾಗಿ ಎದ್ದು ಬಂದ
ಮೇಲೆ ನಾವು ಆತನ ಸಂಗಡ ಅನ್ನಪಾನಗಳನ್ನು ತಕ್ಕೊಂಡೆವು. ೪೨ ಆತನೇ ಜೀವಿತರಿಗೂ
ಸತ್ತವರಿಗೂ ನ್ಯಾಯಾಧಿಪತಿಯಾಗಿ ದೇವರಿಂದ ನೇಮಕವಾದವನು ಎಂಬುದನ್ನು ಜನರಿಗೆ ಸಾರಿ
ಸಾಕ್ಷಿ ಹೇಳಬೇಕೆಂದು ದೇವರು ನಮಗೆ ಅಪ್ಪಣೆಕೊಟ್ಟನು. ೪೩ ಆತನಲ್ಲಿ ನಂಬಿಕೆಯಿಡುವ
ಪ್ರತಿಯೊಬ್ಬನು ಆತನ ಹೆಸರಿನ ಮೂಲಕವಾಗಿ ಪಾಪಪರಿಹಾರವನ್ನು ಹೊಂದುವನೆಂದು ಆತನ
ವಿಷಯದಲ್ಲಿ ಪ್ರವಾದಿಗಳೆಲ್ಲರು ಸಾಕ್ಷಿಹೇಳಿದ್ದಾರೆ ಅಂದನು. ೪೪ ಪೇತ್ರನು ಈ ಮಾತುಗಳನ್ನು
ಇನ್ನೂ ಹೇಳುತ್ತಿರುವಾಗ ಅವನ ವಾಕ್ಯವನ್ನು ಕೇಳಿದವರೆಲ್ಲರ ಮೇಲೆ ಪವಿತ್ರಾತ್ಮವರವು
ಇಳಿಯಿತು. ೪೫-೪೬ ಅವರು ನಾನಾ ಭಾಷೆಗಳನ್ನಾಡುತ್ತಾ ದೇವರನ್ನು ಕೊಂಡಾಡುತ್ತಾ ಇರುವದನ್ನು
ಪೇತ್ರನ ಸಂಗಡ ಬಂದಿದ್ದ ಯೆಹೂದ್ಯರಾದ ವಿಶ್ವಾಸಿಗಳು ಕೇಳುದಾಗ – ಅನ್ಯಜನಗಳಿಗೂ
ಪವಿತ್ರಾತ್ಮ ದಾನಮಾಡಲ್ಪಟ್ಟಿದೆಯಲ್ಲಾ ಎಂದು ಅತ್ಯಾಶ್ಚರ್ಯಪಟ್ಟರು. ನಡೆದ ಸಂಗತಿಯನ್ನು
ಪೇತ್ರನು ನೋಡಿ — ೪೭ ನಮ್ಮ ಹಾಗೆಯೇ ಪವಿತ್ರಾತ್ಮವರವನ್ನು ಹೊಂದಿದ ಇವರಿಗೆ ನೀರಿನ
ದೀಕ್ಷಾಸ್ನಾನವಾಗದಂತೆ ಯಾರಾದರೂ ಅಭ್ಯಂತರ ಮಾಡಾರೇ ಎಂದು ಹೇಳಿ ಅವರಿಗೆ —

೪೮ ನೀವು ಯೇಸು ಕ್ರಿಸ್ತನ ಹೆಸರಿನಲ್ಲಿ ದೀಕ್ಷಾಸ್ನಾನಮಾಡಿಸಿಕೊಳ್ಳಬೇಕೆಂದು ಅಪ್ಪಣೆಕೊಟ್ಟನು.
ಆ ಮೇಲೆ ಅವರು ಅವನನ್ನು ಇನ್ನೂ ಕೆಲವು ದಿವಸ ಇರಬೇಕೆಂದು ಬೇಡಿಕೊಂಡರು.

### ಪೇತ್ರನು ಅನ್ಯಜನರೊಂದಿಗೆ ಬಳಿಕೆ ಮಾಡಿದ್ದಕ್ಕೆ ಯೆರೂಸಲೇಮಿನಲ್ಲಿದ್ದ ಯೆಹೂದ್ಯ ಕ್ರೈಸ್ತರು ಆಕ್ಷೇಪಣೆ ಮಾಡಲು ಪೇತ್ರನು ಪ್ರತಿವಾದ ಹೇಳಿದ್ದು

## ೧೧

೧ ಅನ್ಯಜನರು ಸಹ ದೇವರ ವಾಕ್ಯವನ್ನು ಅಂಗೀಕರಿಸಿದರೆಂಬ ಸಮಾಚಾರವನ್ನು
ಅಪೊಸ್ತಲರೂ ಯೂದಾಯದಲ್ಲಿದ್ದ ಸಹೋದರರೂ ಕೇಳಿದರು. ೨-೩ ಪೇತ್ರನು
ಯೆರೂಸಲೇಮಿಗೆ ಬಂದಾಗ ಸುನ್ನತಿಯವರು – ನೀನು ಸುನ್ನತಿಯಿಲ್ಲದವರಲ್ಲಿ ಸೇರಿ
ಅವರ ಸಂಗಡ ಊಟಮಾಡಿದೆಯಲ್ಲಾ ಎಂದು ಅವನ ಕೂಡ ವಿವಾದಿಸಿದರು. ೪ ಪೇತ್ರನು
ನಡೆದ ಸಂಗತಿಯನ್ನು ಅವರಿಗೆ ಮೊದಲಿಂದ ಕ್ರಮವಾಗಿ ವಿವರಿಸಿ ೫ ಹೇಳಿದ್ದೇನಂದರೆ
– ನಾನು ಯೊಪ್ಪ ಪಟ್ಟಣದಲ್ಲಿ ಪ್ರಾರ್ಥನೆಮಾಡುತ್ತಿದ್ದಾಗ ಧ್ಯಾನಪರವಶನಾಗಿದ್ದ ನನಗೆ ಒಂದು
ದರ್ಶನವಾಯಿತು; ಅದೇನಂದರೆ ಆಕಾಶದಿಂದ ನಾಲ್ಕು ಮೂಲೆಗಳನ್ನು ಹಿಡಿದಿದ್ದ ದೊಡ್ಡ
ಜೋಳಿಗೆಯಂತಿರುವ ಒಂದು ವಸ್ತುವು ಇಳಿಸಲ್ಪಟ್ಟು ನಾನಿದ್ದಲ್ಲಿಗೆ ಬಂತು. ೬ ಅದೇನೆಂದು
ತಿಳಿಕೊಳ್ಳುವದಕ್ಕೆ ನಾನು ಚೆನ್ನಾಗಿ ನೋಡಿದಾಗ ನೆಲದಮೇಲೆ ತಿರುಗಾಡುವ ಪಶು ಮೃಗ
ಕ್ರಿಮಿಕೀಟಗಳನ್ನೂ ಅಂತರಿಕ್ಷದಲ್ಲಿ ಹಾರಾಡುವ ಹಕ್ಕಿಗಳನ್ನೂ ಕಂಡೆನು. ೭ ಆಗ – ಪೇತ್ರನೇ, ಎದ್ದು
ಕೊಯ್ದು ತಿನ್ನು ಎಂದು ನನಗೆ ಹೇಳುವ ವಾಣಿಯನ್ನು ಕೇಳಿದೆನು. ೮ ನಾನು – ಬೇಡವೇ ಬೇಡ,
ಸ್ವಾಮೀ, ಹೊಲೆಯಾದ ಪದಾರ್ಥವಾಗಲಿ ಅಶುದ್ಧ ಪದಾರ್ಥವಾಗಲಿ ಎಂದೂ ನನ್ನ ಬಾಯೊಳಗೆ
ಸೇರಿದ್ದಿಲ್ಲ ಅಂದೆನು. ೯ ಅದಕ್ಕೆ – ದೇವರು ಶುದ್ಧ ಮಾಡಿದ್ದನ್ನು ನೀನು ಹೊಲೆ ಎನ್ನಬಾರದು
ಎಂಬದಾಗಿ ಎರಡನೆಯ ಸಾರಿ ಆಕಾಶವಾಣಿಯಾಯಿತು.
೧೦ ಹೀಗೆ ಮೂರು ಸಾರಿ ಆಯಿತು. ಆ ಮೇಲೆ ಎಲ್ಲವೂ ತಿರಿಗಿ ಆಕಾಶಕ್ಕೆ ಎತ್ತಲ್ಪಟ್ಟಿತು.
೧೧ ಆ ಕ್ಷಣದಲ್ಲೇ ಮೂರು ಮಂದಿ ಮನುಷ್ಯರು ನಾವಿದ್ದ ಮನೆಯ ಮುಂದೆ ನಿಂತಿದ್ದರು. ಅವರು
ಕೈಸರೈಯದಿಂದ ನನ್ನ ಹತ್ತರಕ್ಕೆ ಕಳುಹಿಸಲ್ಪಟ್ಟವರು.
೧೨ ದೇವರಾತ್ಮನು – ನೀನು ಏನೂ ಭೇದಮಾಡದೆ ಅವರ ಜೊತೆಯಲ್ಲಿ ಹೋಗು ಎಂದು ನನಗೆ
ಹೇಳಿದನು. ಈ ಆರು ಮಂದಿ ಸಹೋದರರು ಸಹ ನನ್ನ ಸಂಗಡ ಬಂದರು.
೧೩ ಆ ಮನುಷ್ಯನ ಮನೆಯೊಳಗೆ ನಾವು ಸೇರಲು ಅವನು ನಮಗೆ – ಒಬ್ಬ ದೇವದೂತನು ನನ್ನ
ಮನೆಯಲ್ಲಿ ನಿಂತಿರುವದನ್ನು ಕಂಡೆನು. ಆ ದೂತನು – ನೀನು ಯೊಪ್ಪಕ್ಕೆ ಕಳುಹಿಸಿ ಪೇತ್ರನೆನಿಸಿ
ಕೊಳ್ಳುವ ಸೀಮೋನನನ್ನು ಕರಿಸು;
೧೪ ಅವನು ನಿನಗೆ ಕೆಲವು ಮಾತುಗಳನ್ನು ಹೇಳುವನು, ಆ ಮಾತುಗಳಿಂದ ನಿನಗೂ ನಿನ್ನ
ಮನೆಯವರೆಲ್ಲರಿಗೂ ರಕ್ಷಣೆಯಾಗುವದು ಎಂದು ಹೇಳಿದನೆಂಬದಾಗಿ ತಿಳಿಸಿದನು.
೧೫ ನಾನು ಮಾತಾಡುವದಕ್ಕೆ ಪ್ರಾರಂಭಿಸಿದಾಗ ಪವಿತ್ರಾತ್ಮವರವು ಮೊದಲು ನಮ್ಮ ಮೇಲೆ
ಇಳಿದಂತೆ ಅವರ ಮೇಲೆಯೂ ಇಳಿಯಿತು.
೧೬ ಆಗ ಯೋಹಾನನಂತೂ ನೀರಿನ ದೀಕ್ಷಾಸ್ನಾನಮಾಡಿಸಿದನು; ನಿಮಗಾದರೋ
ಪವಿತ್ರಾತ್ಮದಲ್ಲಿ ಸ್ನಾನವಾಗುವದು ಎಂದು ಯೇಸುಸ್ವಾಮಿ ಹೇಳಿದ ಮಾತು ನನ್ನ ನೆನಪಿಗೆ ಬಂತು.
೧೭ ದೇವರು ಕರ್ತನಾಗಿರುವ ಯೇಸು ಕ್ರಿಸ್ತನಲ್ಲಿ ನಂಬಿಕೆಯಿಟ್ಟ ನಮಗೆ ಕೊಟ್ಟ ವರಕ್ಕೆ
ಸರಿಯಾದ ವರವನ್ನು ಅವರಿಗೂ ಕೊಟ್ಟಿರಲಾಗಿ ದೇವರನ್ನು ತಡೆಯುವದಕ್ಕೆ ನಾನು ತಕ್ಕನೋ?
೧೮ ಹೀಗೆಂದ ಮಾತುಗಳನ್ನು ಆ ಸುನ್ನತಿಯವರು ಕೇಳಿ ಆಕ್ಷೇಪಣೆ ಮಾಡುವದನ್ನು ಬಿಟ್ಟು –
ಹಾಗಾದರೆ ದೇವರು ಅನ್ಯಜನರಿಗೂ ಜೀವಕೊಡಬೇಕೆಂದು ಅವರ ಮನಸ್ಸುಗಳನ್ನು ತನ್ನ ಕಡೆಗೆ
ತಿರುಗಿಸಿದ್ದಾನೆ ಎಂದು ದೇವರನ್ನು ಕೊಂಡಾಡಿದರು.

### ಅಂತಿಯೋಕ್ಯದಲ್ಲಿ ಬಹುಜನ ಗ್ರೀಕರು ನಂಬಿದ್ದು; ಬಾರ್ನಬ ಸೌಲರು ಅಲ್ಲಿ ಬೋಧಿಸಿದ್ದು; ಆ ಪಟ್ಟಣದಲ್ಲಿ ಕ್ರೈಸ್ತರೆಂಬ ಹೆಸರು ಉತ್ಪತ್ತಿಯಾದದ್ದು

೧೯ ಸ್ತೆಫನನ ವಿಷಯದಲ್ಲಿ ಉಂಟಾದ ಹಿಂಸೆಯಿಂದ ಚದರಿಹೋದವರು ಯೆಹೂದ್ಯರಿಗೇ
ಹೊರತು ಮತ್ತಾರಿಗೂ ದೇವರ ವಾಕ್ಯವನ್ನು ಹೇಳದೆ ಫೊಯಿನಿಕೆ ಕುಪ್ರ ಅಂತಿಯೋಕ್ಯ
ಪ್ರಾಂತ್ಯಗಳ ವರೆಗೂ ಸಂಚರಿಸಿದರು. ೨೦ ಅವರಲ್ಲಿ ಕುಪ್ರದ್ವೀಪದವರು ಕೆಲವರೂ ಕುರೇನ್ಯದವರು
ಕೆಲವರೂ ಅಂತಿಯೋಕ್ಯಕ್ಕೆ ಬಂದು ಗ್ರೀಕರ ಸಂಗಡಲೂ ಮಾತಾಡಿ ಕರ್ತನಾದ ಯೇಸುವಿನ
ವಿಷಯವಾದ ಸುವಾರ್ತೆಯನ್ನು ತಿಳಿಸಿದರು. ೨೧ ಕರ್ತನ ಹಸ್ತವು ಅವರಿಗೆ ಸಹಾಯವಾದ್ದರಿಂದ

ಬಹು ಜನರು ನಂಬಿ ಕರ್ತನ ಕಡೆಗೆ ತಿರುಗಿಕೊಂಡರು. ೨೨ ಇವರ ವಿಷಯವಾದ ವರ್ತಮಾನವು
ಯೆರೂಸಲೇಮಿನಲ್ಲಿದ್ದ ಸಭೆಯವರ ಕಿವಿಗೆ ಬಿದ್ದಾಗ ಅವರು ಬಾರ್ನಬನನ್ನು ಅಂತಿಯೋಕ್ಯಕ್ಕೆ
ಕಳುಹಿಸಿದರು. ೨೩-೨೪ ಅವನು ಒಳ್ಳೆಯವನೂ ಪವಿತ್ರಾತ್ಮ ಭರಿತನೂ ನಂಬಿಕೆಯಿಂದ
ತುಂಬಿದವನೂ ಆಗಿದ್ದನು. ಆದಕಾರಣ ಅಲ್ಲಿಗೆ ಬಂದು ದೇವರ ಕೃಪಾಕಾರ್ಯವನ್ನು ನೋಡಿದಾಗ
ಸಂತೋಷಪಟ್ಟು – ನೀವು ದೃಢಮನಸ್ಸಿನಿಂದ ಕರ್ತನಲ್ಲಿ ನೆಲೆಗೊಂಡಿರ್ರಿ ಎಂದು ಅವರೆಲ್ಲರಿಗೆ
ಬುದ್ಧಿಹೇಳಿದನು. ೨೫ ಆಗ ಬಹುಮಂದಿ ಕರ್ತನಿಗೆ ಸೇರಿಕೊಂಡರು. ತರುವಾಯ ಬಾರ್ನಬನು
ಸೌಲನನ್ನು ಹುಡುಕುವದಕ್ಕಾಗಿ ತಾರ್ಸಕ್ಕೆ ಹೋಗಿ ೨೬ ಅವನನ್ನು ಕಂಡು ಅಂತಿಯೋಕ್ಯಕ್ಕೆ
ಕರೆದುಕೊಂಡುಬಂದನು. ಆಮೇಲೆ ಅವರು ಪೂರಾ ಒಂದು ವರುಷ ಸಭೆಯವರ ಸಂಗಡ
ಕೂಡಿಯಿದ್ದು ಬಹು ಜನರಿಗೆ ಉಪದೇಶಮಾಡಿದರು. ಅಂತಿಯೋಕ್ಯದಲ್ಲಿಯೇ ಶಿಷ್ಯರಿಗೆ
ಕ್ರೈಸ್ತರೆಂಬ ಹೆಸರು ಮೊದಲು ಬಂತು.

### ಬಾರ್ನಬ ಸೌಲರು ಯೆರೂಸಲೇಮಿಗೆ ದ್ರವ್ಯ ಸಹಾಯವನ್ನು ತೆಗೆದುಕೊಂಡು ಹೋದದ್ದು; ಅಷ್ಟರಲ್ಲಿ ಅರಸನಾದ ಹೆರೋದನು ಯಾಕೋಬನನ್ನು ಕೊಲ್ಲಿಸಿ ಪೇತ್ರನನ್ನು ಸೆರೆಯಲ್ಲಿ ಹಾಕಿಸಿದ್ದು; ದೇವದೂತನು ಪೇತ್ರನನ್ನು ಬಿಡಿಸಿದ್ದು; ಅರಸನು ಸತ್ತದ್ದು

೨೭ ಅ ಕಾಲದ್ಲಲಿ ಪ್ರವಾದಿಗಳಾಗಿದ್ದ ಕೆಲವರು ಯೆರೂಸಲೇಮಿನಿಂದ ಅಂತಿಯೋಕ್ಯಕ್ಕೆ
ಬಂದರು. ೨೮ ಅವರಲ್ಲಿ ಅಗಬನೆಂಬವನೊಬ್ಬನು ಎದ್ದು ಲೋಕಕ್ಕೆಲ್ಲಾ ದೊಡ್ಡ ಕ್ಷಾಮ ಬರುವದು ಎಂದು
ಪವಿತ್ರಾತ್ಮ ಪ್ರೇರಣೆಯಿಂದ ಸೂಚಿಸಿದನು. ಅದು ಕ್ಲೌದ್ಯಚಕ್ರವರ್ತಿಯ ಕಾಲದಲ್ಲಿ ಉಂಟಾಯಿತು;
೨೯ ಆಗ ಆ ಶಿಷ್ಯರಲ್ಲಿ ಪ್ರತಿಯೊಬ್ಬರು ಯೂದಾಯ ಸೀಮೆಯಲ್ಲಿ ವಾಸವಾಗಿದ್ದ ಸಹೋದರರಿಗೆ
ತಮ್ಮತಮ್ಮ ಶಕ್ತ್ಯನುಸಾರ ದ್ರವ್ಯಸಹಾಯ ಮಾಡಬೇಕೆಂದು ನಿಶ್ಚಯಿಸಿಕೊಂಡರು. ೩೦ ಹಾಗೆಯೇ
ಮಾಡಿ ಅದನ್ನು ಬಾರ್ನಬ ಸೌಲರ ಕೈಯಿಂದ ಸಭೆಯ ಹಿರಿಯರಿಗೆ ಕಳುಹಿಸಿದರು.

೧೨ ೧ ಆ ಸಮಯದಲ್ಲೇ ಅರಸನಾದ ಹೆರೋದನು ಸಭೆಯವರಲ್ಲಿ ಕೆಲವರನ್ನು
ಹಿಂಸೆಪಡಿಸುವದಕ್ಕೆ ಕೈಹಾಕಿ ೨ ಯೋಹಾನನ ಅಣ್ಣನಾದ ಯಾಕೋಬನನ್ನು
ಕತ್ತಿಯಿಂದ ಕೊಲ್ಲಿಸಿದನು. ೩ ಇದು ಯೆಹೂದ್ಯರಿಗೆ ಮೆಚ್ಚಿಕೆಯಾಗಿದೆ ಎಂದು ನೋಡಿ ಅಷ್ಟಕ್ಕೆ
ನಿಲ್ಲದೆ ಪೇತ್ರನನ್ನೂ ಹಿಡಿಸಿದನು. ಆ ಕಾಲದಲ್ಲಿ ಹುಳಿಯಿಲ್ಲದ ರೊಟ್ಟಿಯ ಹಬ್ಬ ನಡೆಯುತ್ತಿತ್ತು.
೪ ಅವನನ್ನು ಪಸ್ಕಾ ಹಬ್ಬವಾದ ಮೇಲೆ ಜನರ ಮುಂದೆ ತರಿಸಬೇಕೆಂಬ ಯೋಚನೆಯಿಂದ
ಸೆರೆಯಲ್ಲಿ ಹಾಕಿಸಿ ಅವನನ್ನು ಕಾಯಲಿಕ್ಕೆ ನಾಲ್ಕು ನಾಲ್ಕು ಸಿಪಾಯಿಗಳಿದ್ದ ನಾಲ್ಕು
ಗುಂಪುಗಳ ವಶಕ್ಕೆ ಕೊಟ್ಟನು. ೫ ಪೇತ್ರನು ಸೆರೆಮನೆಯೊಳಗೆ ಕಾವಲಲ್ಲಿದ್ದಾಗ ಸಭೆಯವರು
ಅವನಿಗೋಸ್ಕರ ಆಸಕ್ತಿಯಿಂದ ದೇವರಿಗೆ ಪ್ರಾರ್ಥನೆ ಮಾಡುತ್ತಿದ್ದರು. ೬ ಹೆರೋದನು
ಅವನನ್ನು ಜನರ ಮುಂದೆ ತರಿಸಬೇಕೆಂದಿದ್ದ ದಿವಸದ ಹಿಂದಿನ ರಾತ್ರಿಯಲ್ಲಿ ಪೇತ್ರನು
ಎರಡು ಸರಪಣಿಗಳಿಂದ ಕಟ್ಟಲ್ಪಟ್ಟವನಾಗಿ ಇಬ್ಬರು ಸಿಪಾಯಿಗಳ ನಡುವೆ ನಿದ್ದೆಮಾಡುತ್ತಿದ್ದನು.
ಕಾವಲುಗಾರರು ಬಾಗಿಲ ಮುಂದೆ ನಿಂತು ಸೆರೆಮನೆಯನ್ನು ಕಾಯುತ್ತಿದ್ದರು. ೭ ಫಕ್ಕನೆ ಕರ್ತನ
ದೂತನು ಪೇತ್ರನೆದುರಿಗೆ ನಿಂತನು. ಅವನಿದ್ದ ಕೋಣೆಯಲ್ಲಿ ಬೆಳಕು ಹೊಳೆಯಿತು. ಅವನು
ಪೇತ್ರನನ್ನು ಪಕ್ಕೆ ತಟ್ಟಿ ಎಬ್ಬಿಸಿ – ತಟ್ಟನೆ ಏಳು ಅಂದನು. ಆಗಲೇ ಅವನ ಕೈಗಳಿಗೆ ಹಾಕಿದ್ದ
ಸರಪಣಿಗಳು ಕಳಚಿಬಿದ್ದವು. ೮ ಆ ದೂತನು ಅವನಿಗೆ – ನಡುಕಟ್ಟಿಕೊಂಡು ನಿನ್ನ ಕೆರಗಳನ್ನು
ಮೆಟ್ಟಿಕೋ ಎಂದು ಹೇಳಲು ಅವನು ಹಾಗೇ ಮಾಡಿದನು. ನಿನ್ನ ಮೇಲಂಗಿಯನ್ನು ಹಾಕಿಕೊಂಡು
ನನ್ನ ಹಿಂದೆ ಬಾ ಅಂದನು. ೯ ಅವನು ಹೊರಗೆ ಬಂದು ಆ ದೂತನ ಹಿಂದೆಯೇ ಹೋಗುತ್ತಾ ದೂತನ
ಮೂಲಕವಾಗಿ ನಡೆದ ಸಂಗತಿ ನಿಜವಾದದ್ದೆಂದು ತಿಳಿಯದೆ ತಾನು ನೋಡಿದ್ದು ಕನಸು ಎಂದು
ನೆನಸಿದನು.
೧೦ ಅವರು ಮೊದಲನೆಯ ಎರಡನೆಯ ಕಾವಲುಗಳನ್ನು ದಾಟಿ ಪಟ್ಟಣಕ್ಕೆ ಹೋಗುವ ಕಬ್ಬಿಣದ
ಬಾಗಿಲಿಗೆ ಬಂದಾಗ ಅದು ತನ್ನಷ್ಟಕ್ಕೆ ತಾನೇ ಅವರಿಗೆ ತೆರೆಯಿತು. ಅವರು ಹೊರಗೆ ಬಂದು
ಒಂದು ಬೀದಿಯನ್ನು ದಾಟಿದರು; ಕೂಡಲೇ ಆ ದೂತನು ಅವನನ್ನು ಬಿಟ್ಟು ಹೋದನು.
೧೧ ಆಗ ಪೇತ್ರನು ಎಚ್ಚರವಾಗಿ – ಕರ್ತನು ತನ್ನ ದೂತನನ್ನು ಕಳುಹಿಸಿ ಹೆರೋದನ ಕೈಯಿಂದಲೂ
ಯೆಹೂದ್ಯಜನರು ನನಗೆ ಮಾಡಬೇಕೆಂದಿದ್ದ ಕೇಡಿನಿಂದಲೂ ನನ್ನನ್ನು ಬಿಡಿಸಿದನೆಂದು
ನನಗೀಗ ನಿಜವಾಗಿ ತಿಳಿದು ಬಂದಿದೆ ಅಂದುಕೊಂಡನು.

೧೨ ತರುವಾಯ ಅವನು ಯೋಚನೆಮಾಡಿಕೊಂಡು ಮಾರ್ಕನೆನಿಸಿಕೊಳ್ಳುವ
ಯೋಹಾನನ ತಾಯಿಯಾದ ಮರಿಯಳ ಮನೆಗೆ ಬಂದನು. ಅಲ್ಲಿ ಅನೇಕರು ಕೂಡಿಬಂದು
ಪ್ರಾರ್ಥನೆಮಾಡುತ್ತಿದ್ದರು.
೧೩ ಪೇತ್ರನು ಬಾಗಿಲನ ಕದವನ್ನು ತಟ್ಟಲು ರೋದೆ ಎಂಬ ಒಬ್ಬ ಚಾಕರಿಯವಳು ನೋಡುವುದಕ್ಕೆ
ಬಂದಳು. ೧೪ ಅವಳು ಪೇತ್ರನ ಧ್ವನಿಯನ್ನು ಗೊತ್ತುಹಿಡಿದು ಸಂತೋಷದ ನಿಮಿತ್ತದಿಂದಲೇ
ಬಾಗಿಲನ್ನು ತೆರೆಯದೆ ಒಳಕ್ಕೆ ಓಡಿಹೋಗಿ – ಪೇತ್ರನು ಬಾಗಿಲ ಮುಂದೆ ನಿಂತಿದ್ದಾನೆ ಎಂದು
ತಿಳಿಸಿದಳು. ಅವರು ಅವಳಿಗೆ – ನಿನಗೆ ಹುಚ್ಚು ಹಿಡಿದದೆ ಎಂದು ಹೇಳಿದರು.
೧೫ ಆದರೆ ಅವಳು ತಾನು ಹೇಳಿದಂತೆಯೇ ಅದೆ ಎಂದು ದೃಢವಾಗಿ ಹೇಳುತ್ತಾ ಇರಲು ಅವನ
ದೂತನಾಗಿರಬೇಕು ಅಂದರು.
೧೬ ಅಷ್ಟರಲ್ಲಿ ಪೇತ್ರನು ಇನ್ನೂ ತಟ್ಟುತ್ತಾ ಇರಲು ಅವರು ಬಾಗಿಲನ್ನು ತೆರೆದು ಅವನನ್ನು ಕಂಡು
ಬೆರಗಾದರು.
೧೭ ಆದರೆ ಅವನು ಸುಮ್ಮಗಿರ್ರಿ ಎಂದು ಅವರಿಗೆ ಕೈಸನ್ನೆ ಮಾಡಿ ತನ್ನನ್ನು ಕರ್ತನು
ಸೆರೆಮನೆಯೊಳಗಿಂದ ಹೊರಗೆ ಕರೆದು ಕೊಂಡು ಬಂದ ರೀತಿಯನ್ನು ವಿವರಿಸಿ ಈ
ಸಂಗತಿಗಳನ್ನು ಯಾಕೋಬನಿಗೂ ಸಹೋದರರೆಲ್ಲರಿಗೂ ತಿಳಿಸರೆಂದು ಹೇಳಿ ಬೇರೆ ಸ್ಥಳಕ್ಕೆ
ಹೊರಟುಹೋದನು.
೧೮ ಬೆಳಗಾದ ಮೇಲೆ ಪೇತ್ರನು ಏನಾದನೆಂದು ಸಿಪಾಯಿಗಳಲ್ಲಿ ಬಹಳ ಕಳವಳ ಉಂಟಾಯಿತು.
೧೯ ಹೆರೋದನು ಅವನನ್ನು ಹುಡುಕಿಸಿ ಅವನು ಸಿಕ್ಕಲಿಲ್ಲವಾದದರಿಂದ ಕಾವಲುಗಾರರನ್ನು
ವಿಚಾರಣೆಮಾಡಿ ಅವರಿಗೆ ಮರಣದಂಡನೆಯನ್ನು ವಿಧಿಸಿದನು. ಬಳಿಕ ಯೂದಾಯದಿಂದ
ಕೈಸರೈಯಕ್ಕೆ ಹೋಗಿ ಅಲ್ಲಿ ಕೆಲವು ಕಾಲ ಇದ್ದನು. ೨೦ ತೂರ್ ಸೀದೋನ್ ಪಟ್ಟಣಗಳ
ನಿವಾಸಿಗಳು ತಮ್ಮ ಮೇಲೆ ಹೆರೋದನು ಬಹಳವಾಗಿ ಕೋಪಿಸಿಕೊಂಡಿರುವದನ್ನು ನೋಡಿ
ಒಂದೇ ಮನಸ್ಸಿನಿಂದ ಅವನ ಸನ್ನಿಧಿಗೆ ಬಂದು ಅರಸನ ಅಂತಃಪುರದ ಮೇಲಣ ಅಧಿಕಾರಿಯಾದ
ಬ್ಲಾಸ್ತನನ್ನು ಒಲಿಸಿಕೊಂಡು ಸಮಾಧಾನವಾಗಬೇಕೆಂದು ಅರಸನನ್ನು ಬೇಡಿಕೊಂಡರು.
ಯಾಕಂದರೆ ಅರಸನ ಸೀಮೆಯಿಂದಲೇ ಅವರ ಸೀಮೆಗೆ ದವಸಧಾನ್ಯಬರುತ್ತಿತ್ತು.
೨೧ ಗೊತ್ತುಮಾಡಿದ ಒಂದು ದಿನದಲ್ಲಿ ಹೆರೋದನು ರಾಜವಸ್ತ್ರವನ್ನು ಧರಿಸಿಕೊಂಡು ರಾಜಾಸನದ
ಮೇಲೆ ಕೂತು ಅವರಿಗೆ ಉಪನ್ಯಾಸ ಮಾಡಿದನು. ೨೨ ಕೂಡಿದ್ದ ಜನರು – ಇದು ಮನುಷ್ಯನ
ನುಡಿಯಲ್ಲ, ದೇವರ ನುಡಿಯೇ ಎಂದು ಅರ್ಭಟಿಸಿದರು. ೨೩ ಆ ಘನವನ್ನು ಅವನು ದೇವರಿಗೆ
ಸಲ್ಲಿಸದೆ ಹೋದದರಿಂದ ಕರ್ತನ ದೂತನು ಆ ಕ್ಷಣದಲ್ಲೇ ಅವನನ್ನು ಬಡಿದನು; ಅವನು ಹುಳಬಿದ್ದು
ಸತ್ತನು. ೨೪ ಅದರೆ ದೇವರ ವಾಕ್ಯವು ಹಬ್ಬಿ ಹೆಚ್ಚುತ್ತಾ ಬಂತು. ೨೫ ಬಾರ್ನಬ ಸೌಲರು ಮಾಡಬೇಕಾದ
ಧರ್ಮ ಕಾರ್ಯವನ್ನು ತೀರಿಸಿ ಮಾರ್ಕನೆನಿಸಿಕೊಳ್ಳುವ ಯೋಹಾನನನ್ನು ಕರಕೊಂಡು
ಯೆರೂಸಲೇಮಿನಿಂದ ಹಿಂತಿರುಗಿ ಬಂದರು.

## ಸುವಾರ್ತೆಯನ್ನು ಸಾರುವದಕ್ಕೆ ಪೌಲನು ಮಾಡಿದ ಮೊದಲನೆಯ ಪ್ರಯಾಣದ ಸಂಗತಿಗಳು. (೧೩. ೧-೧೪,೨೮) ಬಾರ್ನಬ ಸೌಲರು ಕುಪ್ರದ್ವೀಪಕ್ಕೆ ಹೋದದ್ದು ಎಲುಮನೆಂಬ ಮಂತ್ರವಾದಿಯನ್ನು ಕುರಿತದ್ದು

೧೩ ೧ ಅಂತಿಯೋಕ್ಯದಲ್ಲಿದ್ದ ಸಭೆಯೊಳಗೆ ಪ್ರವಾದಿಗಳೂ ಬೋಧಕರೂ ಇದ್ದರು;
ಯಾರಾರಂದರೆ – ಬರ್ನಬ, ನೀಗರನೆಂಬ ಸಿಮೆಯೋನ, ಕುರೇನ್ಯದ ಲೂಕ್ಯ
ಉಪರಾಜನಾದ ಹೆರೋದನ ಸಾಕತಮ್ಮನಾದ ಮೆನಹೇನ, ಸೌಲ ಇವರೇ. ೨ ಇವರ ಕರ್ತನನ್ನು
ಸೇವಿಸುತ್ತಾ ಉಪವಾಸಮಾಡುತ್ತಾ ಇದ್ದಾಗ ಪವಿತ್ರಾತ್ಮನು – ನಾನು ಬಾರ್ನಬ ಸೌಲರನ್ನು ಕರೆದ
ಕೆಲಸಕ್ಕಾಗಿ ಅವರನ್ನು ಪ್ರತ್ಯೇಕಿಸಿರಿ ಎಂದು ಹೇಳಿದನು. ೩ ಆಗ ಅವರು ಉಪವಾಸವಿದ್ದು
ಪ್ರಾರ್ಥನೆ ಮಾಡಿ ಆ ಇಬ್ಬರ ಮೇಲೆ ಹಸ್ತಾರ್ಪಣಮಾಡಿ ಅವರನ್ನು ಕಳುಹಿಸಿಕೊಟ್ಟರು.
೪ ಹೀಗೆ ಅವರು ಪವಿತ್ರಾತ್ಮನಿಂದ ಕಳುಹಿಸಿ ಕೊಂಡವರಾಗಿ ಸೆಲ್ಯೂಕ್ಯಕ್ಕೆ ಬಂದರು; ಅಲ್ಲಿಂದ
ಸಮುದ್ರ ಪ್ರಯಾಣವಾಗಿ ಕುಪ್ರದ್ವೀಪಕ್ಕೆ ಹೋದರು. ೫ ಸಲಮೀಸಿಗೆ ಸೇರಿದಾಗ ಯೆಹೂದ್ಯರ
ಸಭಾಮಂದಿರಗಳಲ್ಲಿ ದೇವರ ವಾಕ್ಯವನ್ನು ಪ್ರಸಿದ್ಧಿಪಡಿಸಿದರು. ಯೋಹಾನನು ಪರಿಚಾರಕನಾಗಿ
ಅವರ ಸಂಗಡ ಇದ್ದನು. ೬ ಅವರು ದ್ವೀಪದಲ್ಲೆಲ್ಲಾ ಸಂಚಾರಮಾಡಿ ಪಾಫೋಸ್ ಎಂಬ ಊರಿನ
ತನಕ ಬಂದು ಅಲ್ಲಿ ಸುಳ್ಳುಪ್ರವಾದಿಯೂ ಮಂತ್ರವಾದಿಯೂ ಆಗಿದ್ದ ಬಾರ್ಯೇಸು ಎಂಬ
ಒಬ್ಬ ಯೆಹೂದ್ಯ ಮನುಷ್ಯನನ್ನು ಕಂಡರು. ೭ ಅವನು ಬುದ್ಧಿವಂತನಾಗಿದ್ದ ಸೆರ್ಗ್ಯಪೌಲನೆಂಬ

ಅಧಿಪತಿಯ ಹತ್ತಿರದಲ್ಲಿದ್ದನು. ಅಧಿಪತಿಯು ಬಾರ್ನಬ ಸೌಲರನ್ನು ತನ್ನ ಬಳಿಗೆ ಕರಸಿ ದೇವರ
ವಾಕ್ಯವನ್ನು ಕೇಳುವದಕ್ಕೆ ಅಪೇಕ್ಷೆ ಅದೆ ಎಂದು ಹೇಳಿದನು. ೮ ಆದರೆ ಆ ಮಂತ್ರವಾದಿಯಾದ
ಎಲುಮನು ಅವರಿಗೆ ಎದುರು ನಿಂತು ಅಧಿಪತಿಯು ಕ್ರಿಸ್ತನನ್ನು ನಂಬದ ಹಾಗೆ ಪ್ರಯತ್ನಿಸಿದನು.
ಎಲುಮನೆಂಬ ಹೆಸರಿಗೆ ಮಂತ್ರವಾದಿ ಎಂಬದೇ ಅರ್ಥ. ೯ ಆಗ ಪೌಲನೆನಿಸಿಕೊಳ್ಳುವ ಸೌಲನು
ಪವಿತ್ರಾತ್ಮಭರಿತನಾಗಿ
೧೦ ಅವನನ್ನು ದೃಷ್ಟಿಸಿನೋಡಿ – ಎಲೋ, ಎಲ್ಲಾ ಮೋಸದಿಂದಲೂ ಎಲ್ಲಾ ಕೆಟ್ಟತನದಿಂದಲೂ
ತುಂಬಿರುವವನೇ, ಸೈತಾನನ ಮಗನೇ, ಎಲ್ಲಾ ನೀತಿಗೂ ವಿರೋಧಿಯೇ, ನೀನು ಕರ್ತನ ನೀಟಾದ
ಮಾರ್ಗಗಳನ್ನು ಡೊಂಕು ಮಾಡುವದನ್ನು ಬಿಡುವದಿಲ್ಲವೋ?
೧೧ ಇಗೋ, ಕರ್ತನು ನಿನ್ನ ಮೇಲೆ ಕೈ ಎತ್ತಿದ್ದಾನೆ; ನೀನು ಕುರುಡನಾಗಿ ಕೆಲವು ಕಾಲ
ಸೂರ್ಯನನ್ನು ಕಾಣದೆ ಇರುವಿ ಎಂದು ಹೇಳಿದನು. ಆ ಕ್ಷಣವೇ ಅವನಿಗೆ ಕಣ್ಣು ಮೊಬ್ಬಾಗಿ ಕತ್ತಲೆ
ಉಂಟಾಯಿತು; ಅವನು ಕೈಹಿಡಿಯುವವರನ್ನು ಹುಡುಕುತ್ತಾ ತಿರುಗಾಡಿದನು.
೧೨ ಅಧಿಪತಿಯು ಆ ಸಂಗತಿಯನ್ನು ನೋಡಿ ಕರ್ತನ ಬೋಧನೆಗೆ ಅತ್ಯಾಶ್ಚರ್ಯಪಟ್ಟು
ನಂಬುವವನಾದನು.

### ಪಿಸಿದ್ಯದ ಅಂತಿಯೋಕ್ಷದಲ್ಲಿ ಪೌಲನು ಇಸ್ರಾಯೇಲ್ ಜನರಿಗೆ ಉಪನ್ಯಾಸಮಾಡಿದ್ದು

೧೩ ತರುವಾಯ ಪೌಲನೂ ಅವನ ಜೊತೆಯಲ್ಲಿದ್ದವರೂ ಪಾಫೋಸೂರನ್ನು ಬಿಟ್ಟು
ಸಮುದ್ರಪ್ರಯಾಣಮಾಡಿ ಪಂಫುಲ್ಯ ಸೀಮೆಗೆ ಸೇರಿದ ಪೆರ್ಗೆಗೆ ಬಂದರು; ಯೋಹಾನನು
ಅವರನ್ನು ಬಿಟ್ಟು ಹಿಂತಿರುಗಿ ಯೆರೂಸಲೇಮಿಗೆ ಹೋದನು.
೧೪ ಆ ಮೇಲೆ ಅವರು ಪೆರ್ಗೆಯಿದ ಸಂಚಾರಮಾಡಿ ಪಿಸಿದ್ಯ ಸೀಮೆಗೆ ಸೇರಿದ
ಅಂತಿಯೋಕ್ಯಕ್ಕೆ ಬಂದರು. ಸಬ್ಬತ್‌ದಿನದಲ್ಲಿ ಅವರು ಸಭಾಮಂದಿರಕ್ಕೆ ಹೋಗಿ
ಕೂತುಕೊಂಡರು.
೧೫ ಧರ್ಮಶಾಸ್ತ್ರವು ಪ್ರವಾದಿಗಳ ಗ್ರಂಥವು ಇವುಗಳ ಪಾರಾಯಣವಾದ ಮೇಲೆ ಸಭಾಮಂದಿರದ
ಯಜಮಾನರು – ಸಹೋದರರೇ, ಜನರಿಗೆ ಹೇಳತಕ್ಕ ಬುದ್ಧಿಮಾತೇನಾದರೂ ನಿಮಗಿದ್ದರೆ
ಹೇಳಿರಿ ಎಂದು ಅವರಿಗೆ ಹೇಳಿ ಕಳುಹಿಸಿದರು.
೧೬ ಆಗ ಪೌಲನು ಎದ್ದು ಕೈಸನ್ನೆ ಮಾಡಿ ಹೇಳಿದ್ದೇನಂದರೆ –
೧೭ ಇಸ್ರಾಯೇಲ್ ಜನರೇ, ಮತ್ತು ಯೆಹೂದ್ಯ ಮತಾವಲಂಬಿಗಳೇ, ಕೇಳಿರಿ. ನಮ್ಮ
ಇಸ್ರಾಯೇಲ್ ಜನರ ದೇವರು ನಮ್ಮ ಪಿತೃಗಳನ್ನು ಆರಿಸಿಕೊಂಡು ನಮ್ಮ ಜನರು ಐಗುಪ್ತದೇಶದಲ್ಲಿ
ಪರದೇಶಿಗಳಾಗಿ ವಾಸಿಸುತ್ತಿದ್ದಾಗ ಅವರನ್ನು ವೃದ್ಧಿಗೆ ತಂದು ಭುಜಬಲದಿಂದ ಆ ದೇಶದೊಳಗಿಂದ
ಬರಮಾಡಿದನು.
೧೮ ಆತನು ಸುಮಾರು ನಾಲ್ವತ್ತು ವರುಷಗಳ ವರೆಗೂ ಅಡವಿಯಲ್ಲಿ ಅವರ ನಡಾವಳಿಯನ್ನು
ಸಹಿಸಿಕೊಂಡು
೧೯ ಕಾನಾನ್ ದೇಶದಲ್ಲಿದ್ದ ಅನ್ಯಜನಗಳ ಏಳು ರಾಜ್ಯಗಳನ್ನು ನಿರ್ಮೂಲಮಾಡಿ ಆ ಜನರ
ದೇಶವನ್ನು ಅವರಿಗೆ ಬಾಧ್ಯವಾಗಿ ಹಂಚಿಕೊಟ್ಟನು. ೨೦ ಇಷ್ಟರೊಳಗೆ ಸುಮಾರು ನಾನೂರೈವತ್ತು
ವರುಷಗಳು ಗತಿಸಿದವು. ಇದಾದ ಮೇಲೆ ಪ್ರವಾದಿಯಾದ ಸಮುವೇಲನ ಕಾಲದ ವರೆಗೆ
ನ್ಯಾಯಾಧಿಪತಿಗಳನ್ನು ಕೊಟ್ಟನು. ೨೧ ತರುವಾಯ ಅವರು ತಮಗೆ ಅರಸನು ಬೇಕೆಂದು
ಕೇಳಿಕೊಳ್ಳಲು ದೇವರು ಅವರಿಗೆ ಬೆನ್ಯಾಮೀನನ ಕುಲದ ಕೀಷನ ಮಗನಾದ ಸೌಲನನ್ನು
ಕೊಟ್ಟನು. ಅವನು ನಾಲ್ವತ್ತು ವರುಷ ಆಳಿದನು. ೨೨ ಆ ಮೇಲೆ ದೇವರು ಅವನನ್ನು ತೆಗೆದುಹಾಕಿ
ದಾವೀದನನ್ನು ಅವರ ಮೇಲೆ ಅರಸನನ್ನಾಗಿ ಮಾಡಿ – ಇಷಯನ ಮಗನಾದ ದಾವೀದನು ನನಗೆ
ಸಿಕ್ಕಿದನು, ಅವನು ನನಗೆ ಒಪ್ಪುವ ಮನುಷ್ಯನು, ಅವನು ನನ್ನ ಇಷ್ಟವನ್ನೆಲ್ಲಾ ನೆರವೇರಿಸುವನು
ಎಂಬದಾಗಿ ಅವನ ವಿಷಯದಲ್ಲಿ ಸಾಕ್ಷಿಹೇಳಿದನು. ೨೩ ಅವನ ಸಂತಾನದಿಂದ ದೇವರು ತನ್ನ
ವಾಗ್ದಾನದ ಪ್ರಕಾರ ಇಸ್ರಾಯೇಲ್ಯರಿಗೆ ಒಬ್ಬ ರಕ್ಷಕನನ್ನು ಹುಟ್ಟಿಸಿದ್ದಾನೆ. ೨೪ ಆ ರಕ್ಷಕನೇ ಯೇಸು,
ಆತನ ಆಗಮನಕ್ಕೆ ಮುಂಚೆ ಯೋಹಾನನು ಇಸ್ರಾಯೇಲ್ ಜನರೆಲ್ಲರಿಗೆ – ನೀವು ದೇವರ
ಕಡೆಗೆ ತಿರುಗಿಕೊಂಡು ಸ್ನಾನಮಾಡಿಸಿಕೊಳ್ಳಬೇಕೆಂದು ಸಾರಿದನು. ೨೫ ಯೋಹಾನನು ತನ್ನ
ಸೇವೆಯನ್ನು ಪೂರೈಸುತ್ತಿರುವಾಗ ಜನರಿಗೆ – ನನ್ನನ್ನು ಯಾರೆಂದು ಯೋಚಿಸುತ್ತೀರಿ? ನಾನು
ಆತನಲ್ಲ, ಆದರೆ ನನ್ನ ಹಿಂದೆ ಒಬ್ಬನು ಬರುತ್ತಾನೆ, ಆತನ ಪಾದದ ಕೆರಗಳನ್ನು ಬಿಚ್ಚುವದಕ್ಕೆ
ನಾನು ಯೋಗ್ಯನಲ್ಲ ಎಂದು ಹೇಳಿದನು. ೨೬ ಸಹೋದರರೇ, ಅಬ್ರಹಾಮನ ವಂಶಸ್ಥರೇ, ಮತ್ತು

ನಿಮ್ಮಲ್ಲಿರುವ ಯೆಹೂದ್ಯಮತಾವಲಂಬಿಗಳೇ, ನಮಗೆ ಈ ರಕ್ಷಣೆಯ ವಾಕ್ಯವು ಕಳುಹಿಸಿ
ಅದೆ. ೨೭ ಯೆರೂಸಲೇಮಿನಲ್ಲಿ ವಾಸವಾಗಿರುವವರೂ ಅವರ ಅಧಿಕಾರಿಗಳೂ ಆತನನ್ನಾಗಲಿ
ಪ್ರತಿ ಸಬ್ಬತ್‍ದಿನದಲ್ಲಿ ಪಾರಾಯಣವಾಗುವ ಪ್ರವಾದಿಗಳ ವಾಕ್ಯಗಳನ್ನಾಗಲಿ ಗ್ರಹಿಸದೆ ಅತನನ್ನು
ಅಪರಾಧಿಯೆಂದು ತೀರ್ಪುಮಾಡಿ ಆ ವಾಕ್ಯಗಳನ್ನೇ ನೆರವೇರಿಸಿದರು. ೨೮ ಮರಣದಂಡನೆಗೆ
ಕಾರಣವೇನೂ ತಮಗೆ ಸಿಕ್ಕದಿದ್ದರೂ ಆತನನ್ನು ಕೊಲ್ಲಿಸಬೇಕೆಂದು ಪಿಲಾತನನ್ನು
ಕೇಳಿಕೊಂಡರು. ೨೯ ಆತನ ವಿಷಯವಾಗಿ ಶಾಸ್ತ್ರದಲ್ಲಿ ಬರೆದಿರುವದನ್ನೆಲ್ಲಾ ನೆರವೇರಿಸಿದ
ಮೇಲೆ ಆತನನ್ನು ಮರದ ಕಂಭದಿಂದ ಇಳಿಸಿ ಸಮಾಧಿಯಲ್ಲಿಟ್ಟರು. ೩೦ ಅದರೆ ದೇವರು ಆತನನ್ನು
ಸತ್ತವರೊಳಗಿಂದ ಎಬ್ಬಿಸಿದನು. ೩೧ ಮತ್ತು ಆತನ ಗಲಿಲಾಯದಿಂದ ಯೆರೂಸಲೇಮಿಗೆ ತನ್ನ
ಜೊತೆಯಲ್ಲಿ ಬಂದವರಿಗೆ ಅನೇಕ ದಿವಸಗಳ ಪರಿಯಂತರ ಕಾಣಿಸಿಕೊಂಡನು. ಅವರು ಈಗ
ಜನರ ಮುಂದೆ ಆತನಿಗೆ ಸಾಕ್ಷಿಗಳಾಗಿದ್ದಾರೆ. ೩೨-೩೩ ದೇವರು ನಮ್ಮ ಪಿತೃಗಳಿಗೆ ಮಾಡಿದ
ವಾಗ್ದಾನವನ್ನು ನಮ್ಮ ಮಕ್ಕಳಿಗೋಸ್ಕರ ನೆರವೇರಿಸಿದ್ದಾನೆಂಬ ಶುಭಸಮಾಚಾರವನ್ನು ನಾವು
ನಿಮಗೆ ಸಾರುವವರಾಗಿದ್ದೇವೆ. ಆತನು ಯೇಸುವನ್ನು ಎಬ್ಬಿಸಿದ್ದರಲ್ಲಿ – ನನಗೆ ನೀನು ಮಗನು,
ನಾನೇ ಈ ಹೊತ್ತು ನಿನ್ನನ್ನು ಪಡೆದಿದ್ದೇನೆ ಎಂದು ಎರಡನೆಯ ಕೀರ್ತನೆಯಲ್ಲಿ ಬರೆದಿರುವ
ಮಾತು ನೆರವೇರಿತು. ೩೪ ಇದಲ್ಲದೆ ದೇವರು ಯೇಸುವನ್ನು ಸತ್ತವರೊಳಗಿಂದ ಎಬ್ಬಿಸಿದ್ದರಿಂದ
ಆತನು ಇನ್ನೆಂದಿಗೂ ಕೊಳೆಯುವ ಅವಸ್ಥೆಗೆ ಸೇರತಕ್ಕವನಲ್ಲವೆಂಬದರ ವಿಷಯದಲ್ಲಿ ದೇವರು
ಹೇಳಿರುವದೇನಂದರೆ – ದಾವೀದನಿಗೆ ಖಂಡಿತವಾಗಿ ವಾಗ್ದಾನಮಾಡಿದ ಕೃಪಾವರಗಳನ್ನು
ನಿಮಗೆ ಕೊಡುತ್ತೇನೆ, ಅವು ನಂಬಿಕೆಯಾದವುಗಳೇ ಎಂಬದು. ೩೫ ಅದಕ್ಕನುಸಾರವಾಗಿ ಆತನು
– ನೀನು ನಿನ್ನ ಪ್ರಿಯನಿಗೆ ಕೊಳೆಯುವ ಅವಸ್ಥೆಯನ್ನು ನೋಡಗೊಡಿಸುವದಿಲ್ಲವೆಂದು
ಬೇರೊಂದು ಕೀರ್ತನೆಯಲ್ಲಿ ಹೇಳಿದ್ದಾನೆ. ೩೬ ದಾವೀದನಾದರೋ ತನ್ನ ಸಕಾಲದವರಿಗೆ
ಸೇವೆಮಾಡಿದನಂತರ ದೈವಸಂಕಲ್ಪದಿಂದ ನಿದ್ರೆಹೋಗಿ ತನ್ನ ಪಿತೃಗಳ ಬಳಿಯಲ್ಲಿ ಇಡಲ್ಪಟ್ಟು
ಕೊಳೆಯುವ ಅವಸ್ಥೆಯನ್ನು ಅನುಭವಿಸಿದನು. ೩೭ ಆದರೆ ದೇವರು ಎಬ್ಬಿಸಿದಾತನು
ಕೊಳೆಯುವ ಅವಸ್ಥೆಯನ್ನು ಅನುಭವಿಸಲಿಲ್ಲ. ೩೮ ಆದದರಿಂದ ಸಹೋದರರೇ, ಆತನ
ಮೂಲಕವಾಗಿ ಪಾಪಪರಿಹಾರವು ದೊರೆಯುತ್ತದೆಂಬದು ನಿಮಗೆ ಸಾರೋಣವಾಗುತ್ತದೆಂದು
ನಿಮಗೆ ತಿಳಿದಿರಲಿ. ೩೯ ಮೋಶೆಯ ಧರ್ಮಶಾಸ್ತ್ರದ ಮೂಲಕ ನೀವು ಬಿಡುಗಡೆ
ಹೊಂದಲಾಗದ ಎಲ್ಲಾ ಪಾಪಗಳಿಂದ ನಂಬುವವರೆಲ್ಲರು ಆತನ ಮೂಲಕವಾಗಿ ಬಿಡುಗಡೆಹೊಂದಿ
ನೀತಿವಂತರೆನಿಸಿ ಕೊಳ್ಳುತ್ತಾರೆ. ೪೦ ಹೀಗಿರಲಾಗಿ ಪ್ರವಾದಿಗಳ ಗ್ರಂಥದಲ್ಲಿ ಹೇಳಿರುವದು
ನಿಮಗೆ ಸಂಭವಿಸದಂತೆ ನೋಡಿ ಕೊಳ್ಳಿರಿ. ಆದೇನಂದರೆ –
೪೧ ಎಲಯ ತಿರಸ್ಕಾರಮಾಡುವವರೇ, ಆಶ್ಚರ್ಯಪಡಿರಿ, ನಾಶವಾಗಿಹೋಗಿರಿ.
ನಿಮ್ಮ ಕಾಲದಲ್ಲಿ ನಾನು ಒಂದು ಕಾರ್ಯವನ್ನು ಮಾಡುವೆನು;
ಆ ಕಾರ್ಯವನ್ನು ಒಬ್ಬನು ನಿಮಗೆ ವಿವರಿಸಿದರೂ
ನೀವು ಅದನ್ನು ಎಷ್ಟು ಮಾತ್ರಕ್ಕೂ ನಂಬುವದಿಲ್ಲ
ಎಂಬದು ಎಂದು ಹೇಳಿದನು.

೪೨ ಪೌಲನೂ ಬಾರ್ನಬನೂ ಸಭಾಮಂದಿರವನ್ನು ಬಿಟ್ಟು ಹೋಗುತ್ತಿರುವಾಗ ಜನರು ಈ
ಮಾತುಗಳನ್ನು ಬರುವ ಸಬ್ಬತ್‍ದಿನದಲ್ಲಿಯೂ ತಮಗೆ ಹೇಳಬೇಕೆಂದು ಕೇಳಿಕೊಂಡರು.
೪೩ ಸಭೆಯು ಮುಗಿದ ತರುವಾಯ ಯೆಹೂದ್ಯರಲ್ಲಿಯೂ ದೇವಭಕ್ತರಾಗಿದದ ಯೆಹೂದ್ಯ
ಮತಾವಲಂಬಿಗಳಲ್ಲಿಯೂ ಅನೇಕರು ಪೌಲ ಬಾರ್ನಬರನ್ನು ಹಿಂಬಾಲಿಸಿದರು. ಇವರು
ಅವರ ಸಂಗಡ ಮಾತಾಡಿ ದೇವರ ಕೃಪಾಶ್ರಯದಲ್ಲಿ ನೆಲೆಗೊಂಡಿರಬೇಕೆಂದು ಅವರನ್ನು
ಪ್ರೋತ್ಸಾಹಪಡಿಸಿದರು. ೪೪ ಮುಂದಿನ ಸಬ್ಬತ್‍ದಿನದಲ್ಲಿ ಸ್ವಲ್ಪಕಡಿಮೆ ಊರೆಲ್ಲಾ ದೇವರ
ವಾಕ್ಯವನ್ನು ಕೇಳುವದಕ್ಕೆ ಕೂಡಿಬಂತು. ೪೫ ಆದರೆ ಜನರು ಗುಂಪುಗುಂಪಾಗಿ ಬರುವದನ್ನು
ನೋಡಿ ಯೆಹೂದ್ಯರು ಮತಾಭಿಮಾನದಿಂದ ತುಂಬಿದವರಾಗಿ ಪೌಲನು ಹೇಳಿದ ಮಾತುಗಳಿಗೆ
ಎದುರ್ಖಂಡಿಸುತ್ತಾ ದೂಷಣೆಮಾಡುತ್ತಾ ಇದ್ದರು. ೪೬ ಆಗ ಪೌಲನೂ ಬಾರ್ನಬನೂ ಧೈರ್ಯದಿಂದ
ಮಾತಾdi – ದೇವರ ವಾಕ್ಯವನ್ನು ಮೊದಲು ನಿಮಗೇ ಹೇಳುವದು ಅವಶ್ಯವಾಗಿತ್ತು; ಆದರೆ ನೀವು
ಅದನ್ನು ತಳ್ಳಿಬಿಟ್ಟು ನಿಮ್ಮನ್ನು ನಿತ್ಯಜೀವಕ್ಕೆ ಅಪಾತ್ರರೆಂದು ತೀರ್ಪುಮಾಡಿ ಕೊಂಡದ್ದರಿಂದ
ಇಗೋ, ನಾವು ನಿಮ್ಮನ್ನು ಬಿಟ್ಟು ಅನ್ಯಜನರ ಕಡೆಗೆ ಹೋಗುತ್ತೇವೆ. ೪೭ ಹಾಗೆಯೇ ಕರ್ತನು
ನಮಗೆ ಅಪ್ಪಣೆ ಕೊಟ್ಟಿದ್ದಾನೆ; ಹೇಗಂದರೆ –
ನೀನು ಲೋಕದ ಕಟ್ಟಕಡೆಯ ವರೆಗೆ ರಕ್ಷಕನಾಗಿರುವಂತೆ

ನಿನ್ನನ್ನು ಅನ್ಯಜನಾಂಗಗಳಿಗೂ ಬೆಳಕನ್ನಾಗಿ ನೇಮಿಸಿದ್ದೇನೆ.
ಎಂದು ದೇವರು ಹೇಳಿದ್ದಾನೆ ಅಂದರು. ೪೮ ಅಲ್ಲಿದ್ದ ಅನ್ಯಜನರು ಆ ಮಾತನ್ನು ಕೇಳಿ
ಸಂತೋಷಪಟ್ಟು ದೇವರ ವಾಕ್ಯವನ್ನು ಹೊಗಳಿದರು; ಮತ್ತು ನಿತ್ಯಜೀವಕ್ಕೆ ನೇಮಿಸಲ್ಪಟ್ಟವರೆಲ್ಲರು
ನಂಬಿದರು. ೪೯ ಕರ್ತನ ವಾಕ್ಯವು ಆ ಸೀಮೆಯ ಎಲ್ಲಾ ಕಡೆಗಳಲ್ಲಿ ಹಬ್ಬುತ್ತಾ ಬಂತು. ೫೦ ಆದರೆ
ಯೆಹೂದ್ಯರು ತಮ್ಮ ಮತಕ್ಕೆ ಸೇರಿದ್ದ ಕುಲೀನ ಸ್ತ್ರೀಯರನ್ನೂ ಊರಿನ ಪ್ರಮುಖರನ್ನೂ ಪ್ರೇರಿಸಿ
ಪೌಲ ಬಾರ್ನಬರ ಮೇಲೆ ಹಿಂಸೆಯನ್ನು ಎಬ್ಬಿಸಿ ಅವರನ್ನು ತಮ್ಮ ಮೇರೆಯಿಂದ ಆಚೆಗೆ
ಅಟ್ಟಿದರು. ೫೧ ಅವರು ತಮ್ಮ ಕಾಲಿಗೆ ಹತ್ತಿದ್ದ ಧೂಳನ್ನು ಅವರ ಮೇಲೆ ಝಾಡಿಸಿಬಿಟ್ಟು
ಇಕೋನ್ಯಕ್ಕೆ ಹೋದರು. ೫೨ ಶಿಷ್ಯರಾದವರು ಸಂತೋಷಪೂರ್ಣರೂ ಪವಿತ್ರಾತ್ಮಭರಿತರೂ ಆದರು.

### ಲುಸ್ತ್ರಪಟ್ಟಣದಲ್ಲಿ ಪೌಲ ಬಾರ್ನಬರು ಹುಟ್ಟು ಕುಂಟನನ್ನು ವಾಸಿಮಾಡಲು ಆ ಊರಿನ ಜನರು ಮೊದಲು ಅವರನ್ನು ಪೂಜಿಸಿದ್ದು, ಆ ಮೇಲೆ ಅಟ್ಟಿಬಿಟ್ಟಿದ್ದು

೧೪ ೧ ಇಕೋನ್ಯದಲ್ಲಿ ಪೌಲ ಬಾರ್ನಬರು ಅದೇ ಪ್ರಕಾರವಾಗಿ ಯೆಹೂದ್ಯರಲ್ಲಿಯೂ
ಗ್ರೀಕರಲ್ಲಿಯೂ ಬಹುಮುಂದಿ ನಂಬುವವರಾದರು. ೨ ಆದರೆ ನಂಬದೆ ಹೋದ
ಯೆಹೂದ್ಯರು ಅನ್ಯಜನರ ಮನಸ್ಸನ್ನು ಸಹೋದರರಿಗೆ ವಿರುದ್ಧವಾಗಿ ರೇಗಿಸಿ ಕೆಡಿಸಿದರು.
೩ ಹೀಗಿರಲಾಗಿ ಪೌಲ ಬಾರ್ನಬರು ಬಹುಕಾಲ ಅಲ್ಲಿದ್ದು ಕರ್ತನು ಅವರ ಕೈಯಿಂದ
ಸೂಚಕಕಾರ್ಯಗಳೂ ಅದ್ಭುತಕಾರ್ಯಗಳೂ ಅಗುವಂತೆ ದಯಪಾಲಿಸಿ ತನ್ನ ಕೃಪಾವಾಕ್ಯಕ್ಕೆ
ಸಾಕ್ಷಿಕೊಟ್ಟದ್ದರಿಂದ ಆತನ ಮೇಲೆ ಭರವಸವಿಟ್ಟು ಧೈರ್ಯದಿಂದ ಮಾತಾಡುತ್ತಿದ್ದರು. ೪ ಆಗ
ಆ ಊರಿನ ಜನರಲ್ಲಿ ಭೇದವುಂಟಾಯಿತು; ಕೆಲವರು ಯೆಹೂದ್ಯರ ಪಕ್ಷದವರಾದರು, ಕೆಲವರು
ಅಪೊಸ್ತಲರ ಪಕ್ಷದವರಾದರು. ೫ ಅನ್ಯಜನರೂ ಯೆಹೂದ್ಯರೂ ಕೂಡಿ ತಮ್ಮ ಅಧಿಪತಿಗಳ
ಸಮ್ಮತಿಯಿಂದ ಅಪೊಸ್ತಲರನ್ನು ಅವಮಾನಪಡಿಸುವದಕ್ಕೂ ಕಲ್ಲೆಸೆದು ಕೊಲ್ಲುವದಕ್ಕೂ
ಪ್ರವರ್ತಿಸಿದಾಗ ೬ ಅಪೊಸ್ತಲರು ಅದನ್ನು ತಿಳಿದು ಓಡಿಹೋಗಿ ಲುಕವೋನ್ಯದಲ್ಲಿದ್ದ
ಲುಸ್ತ್ರ ದೆರ್ಬೆ ಎಂಬ ಊರುಗಳಿಗೂ ೭ ಅವುಗಳಿಗೆ ಸೇರಿರುವ ಸೀಮೆಗೂ ಹೋಗಿ ಅಲ್ಲಿ
ಸುವಾರ್ತೆಯನ್ನು ಸಾರಿದರು. ೮ ಲುಸ್ತ್ರದೊಳಗೆ ಕಾಲುಗಳಲ್ಲಿ ಬಲವಿಲ್ಲದ ಒಬ್ಬ ಮನುಷ್ಯನು
ಕೂತಿದ್ದನು. ಅವನು ಹುಟ್ಟುಕುಂಟನಾಗಿದ್ದು ಎಂದಿಗೂ ನಡೆಯದೆ ಇದ್ದವನು. ೯ ಪೌಲನು ಆಡುವ
ಮಾತುಗಳನ್ನು ಅವನು ಕಿವಿಗೊಟ್ಟು ಕೇಳುತ್ತಿದ್ದನು. ಪೌಲನು ಅವನನ್ನು ಸ್ಥಿರವಾಗಿ ನೋಡಿ
ವಾಸಿಯಾಗುವದಕ್ಕೆ ಬೇಕಾದ ನಂಬಿಕೆಯು ಅವನಲ್ಲಿ ಉಂಟೆಂದು ತಿಳಿದು —
೧೦ ನಿನ್ನ ಕಾಲೂರಿ ನೆಟ್ಟಗೆ ನಿಂತುಕೋ ಎಂದು ಮಹಾಧ್ವನಿಯಿಂದ ಹೇಳಿದನು. ಕೂಡಲೆ ಆ
ಮನುಷ್ಯನು ಹಾರಿ ನಡೆದಾಡಿದನು.
೧೧ ಪೌಲನು ಮಾಡಿದ್ದನ್ನು ಗುಂಪು ಕೂಡಿದ್ದ ಜನರು ನೋಡಿ – ದೇವತೆಗಳು ಮನುಷ್ಯರ
ರೂಪದಿಂದ ನಮ್ಮ ಬಳಿಗೆ ಇಳಿದುಬಂದರು ಎಂದು ಲುಕವೋನ್ಯಭಾಷೆಯಲ್ಲಿ ಕೂಗಾಡಿದರು.
೧೨ ಬಾರ್ನಬನನ್ನು ದ್ಯೌಸ್‍ದೇವರೆಂತಲೂ ಪೌಲನು ಮಾತಾಡುವದರಲ್ಲಿ ಮುಖ್ಯನಾದ್ದರಿಂದ
ಅವನನ್ನು ಹೆರ್ಮೆದೇವರೆಂತಲೂ ಅಂದುಕೊಂಡರು.
೧೩ ಊರ ಮುಂದಿದ್ದ ದ್ಯೌಸ್‍ದೇವರ ದೇವಸ್ಥಾನದ ಪೂಜಾರಿಯು ಎತ್ತುಗಳನ್ನೂ
ಹೂವಿನ ಹಾರಗಳನ್ನೂ ಊರಬಾಗಿಲಿನ ಹತ್ತರಕ್ಕೆ ತಂದು ಜನರೊಂದಿಗೆ ಅವರಿಗೆ
ಬಲಿಕೊಡಬೇಕೆಂದಿದ್ದನು.
೧೪ ಇದನ್ನು ಕೇಳಿ ಅಪೊಸ್ತಲರಾದ ಬಾರ್ನಬ ಪೌಲರು ತಮ್ಮ ವಸ್ತ್ರಗಳನ್ನು ಹರಕೊಂಡು ಜನರ
ಗುಂಪಿನೊಳಗೆ ಕೂಗುತ್ತಾ ನುಗ್ಗಿ —
೧೫ ಜನರೇ, ನೀವು ಮಾಡುವದು ಇದೇನು? ನಾವೂ ಮನುಷ್ಯರು, ನಿಮ್ಮಂಥ ಸ್ವಭಾವವುಳ್ಳವರು.
ನೀವು ಈ ವ್ಯರ್ಥವಾದ ಕೆಲಸಗಳನ್ನು ಬಿಟ್ಟುಬಿಟ್ಟು ಭೂಮ್ಯಾಕಾಶಗಳನ್ನೂ ಸಮುದ್ರವನ್ನೂ
ಅವುಗಳಲ್ಲಿರುವ ಸಮಸ್ತವನ್ನೂ ನಿರ್ಮಾಣಮಾಡಿದ ಜೀವಸ್ವರೂಪನಾದ ದೇವರ ಕಡೆಗೆ
ತಿರುಗಿಕೊಳ್ಳಬೇಕೆಂದು ಸುವಾರ್ತೆಯನ್ನು ನಿಮಗೆ ಸಾರಿಹೇಳುವವರಾಗಿದ್ದೇವೆ.
೧೬ ಗತಿಸಿಹೋದ ಕಾಲದಲ್ಲಿ ಆತನು ಎಲ್ಲಾ ಜನಾಂಗಗಳನ್ನು ತಮ್ಮ ತಮ್ಮ ಮನಸ್ಸಿಗೆ ತೋಚಿದ
ಮಾರ್ಗಗಳಲ್ಲಿ ನಡೆಯುವದಕ್ಕೆ ಬಿಟ್ಟನು.
೧೭ ಆದರೂ ಆತನು ತನ್ನ ವಿಷಯದಲ್ಲಿ ಸಾಕ್ಷಿಕೊಡದೆ ಇರಲಿಲ್ಲ; ನಿಮಗೆ ಆಕಾಶದಿಂದ
ಮಳೆಯನ್ನೂ ಸುಗ್ಗೀಕಾಲಗಳನ್ನೂ ದಯಪಾಲಿಸಿ ಆಹಾರ ಕೊಟ್ಟು ನಿಮ್ಮ ಮನಸ್ಸುಗಳನ್ನು
ಆನಂದದಿಂದ ತುಂಬಿಸಿ ಉಪಕಾರಮಾಡುತ್ತಾ ಬಂದವನು ಆತನೇ ಎಂದು ಹೇಳಿದರು.

೧೮ ಅವರು ಈ ಮಾತುಗಳನ್ನು ಹೇಳಿದರೂ ಜನರನ್ನು ತಮಗೆ ಬಲಿಕೊಡದಂತೆ ತಡೆಯುವದು
ಕಷ್ಟವಾಗಿತ್ತು.
೧೯ ತರುವಾಯ ಅಂತಿಯೋಕ್ಯದಿಂದಲೂ ಇಕೋನ್ಯದಿಂದಲೂ ಯೆಹೂದ್ಯರು ಬಂದು
ಜನರನ್ನು ಪ್ರೇರೇಪಿಸಿ ಪೌಲನನ್ನು ಕೊಲ್ಲುವದಕ್ಕೆ ಕಲ್ಲೆಸೆದು ಅವನು ಸತ್ತನೆಂದು ಭಾವಿಸಿ
ಊರಹೊರಕ್ಕೆ ಎಳೆದುಬಿಟ್ಟರು. ೨೦ ಆದರೆ ಶಿಷ್ಯರು ಅವನ ಸುತ್ತಲು ನಿಂತುಕೊಂಡಿರುವಾಗ
ಅವನು ಎದ್ದು ಊರೊಳಕ್ಕೆ ಹೋದನು. ೨೧ ಮರುದಿನ ಬಾರ್ನಬನ ಜೊತೆಯಲ್ಲಿ ದೆರ್ಬೆಗೆ
ಹೊರಟನು. ಆ ಊರಿನಲ್ಲಿ ಅವರು ಸುವಾರ್ತೆಯನ್ನು ಸಾರಿ ಅನೇಕರನ್ನು ಶಿಷ್ಯರಾಗ
ಮಾಡಿದ ಮೇಲೆ ಹಿಂತಿರುಗಿ ಲುಸ್ತ್ರಕ್ಕೂ ಇಕೋನ್ಯಕ್ಕೂ ಅಂತಿಯೋಕ್ಯಕ್ಕೂ ಬಂದು ಶಿಷ್ಯರ
ಮನಸ್ಸುಗಳನ್ನು ದೃಡಪಡಿಸಿದರು. ೨೨ ನಾವು ಬಹು ಸಂಕಟಗಳನ್ನು ತಾಳಿ ದೇವರ ರಾಜ್ಯದೊಳಗೆ
ಸೇರಬೇಕೆಂಬದಾಗಿ ಎಚ್ಚರಿಕೆಯ ಮಾತನ್ನು ಹೇಳಿ ಕ್ರಿಸ್ತನಂಬಿಕೆಯಲ್ಲಿ ಸ್ಥಿರವಾಗಿರ್ರಿ ಎಂದು
ಅವರನ್ನು ಧೈರ್ಯಗೊಳಿಸಿದರು. ೨೩ ಇದಲ್ಲದೆ ಪ್ರತಿ ಸಭೆಯಲ್ಲಿ ಸಭೆಯವರ ಸಮ್ಮತಿಯಿಂದ
ಹಿರಿಯರನ್ನು ಗೊತ್ತುಮಾಡಿ ನೇಮಿಸಿ ಉಪವಾಸವಿದ್ದು ಪ್ರಾರ್ಥನೆ ಮಾಡಿ ಅವರು
ನಂಬಿದ್ದ ಕರ್ತನ ಕೈಗೆ ಅವರನ್ನು ಒಪ್ಪಿಸಿದರು. ೨೪ ತರುವಾಯ ಪಿಸಿದ್ಯ ಸೀಮೆಯನ್ನು ಹಾದು
ಪಂಫುಲ್ಯಸೀಮೆಗೆ ಬಂದು ೨೫ ಅದಕ್ಕೆ ಸೇರಿರುವ ಪೆರ್ಗೆಯಲ್ಲಿ ಕರ್ತನ ವಾಕ್ಯವನ್ನು ಹೇಳಿದ
ಮೇಲೆ ಅತಾಲ್ಯಕ್ಕೆ ಇಳಿದು ಅಲ್ಲಿಂದ ಸಮುದ್ರಪ್ರಯಾಣವಾಗಿ ಅಂತಿಯೋಕ್ಯಕ್ಕೆ ಮುಟ್ಟಿದರು.
೨೬ ಅವರು ನೆರವೇರಿಸಿ ಬಂದ ಕೆಲಸಕ್ಕೋಸ್ಕರ ದೇವರ ಕೃಪಾಶಯಕ್ಕೆ ಒಪ್ಪಿಸಲ್ಪಟ್ಟವರಾಗಿ
ಆ ಊರಿಂದಲೇ ಹೊರಟಿದ್ದರು. ೨೭ ಅಲ್ಲಿ ಸಭೆಯನ್ನು ಕೂಡಿಸಿ ದೇವರು ತಮ್ಮೊಂದಿಗಿದ್ದು
ಮಾಡಿದ್ದೆಲ್ಲವನ್ನೂ ಆತನು ಅನ್ಯಜನರಿಗೆ ನಂಬಿಕೆಯ ಬಾಗಿಲನ್ನು ತೆರೆದದ್ದನ್ನೂ ವಿವರವಾಗಿ
ಹೇಳಿದರು. ೨೮ ತರುವಾಯ ಅವರು ಅಲ್ಲಿ ಶಿಷ್ಯರ ಸಂಗಡ ಬಹುಕಾಲ ಇದ್ದರು.

## ಯೆಹೂದ್ಯರಲ್ಲದ ಕ್ರೈಸ್ತರಿಗೆ ಸುನ್ನತಿ ಮೊದಲಾದ ಯೆಯೂದ್ಯ ಆಚಾರಗಳು ಅವಶ್ಯವಲ್ಲವೆಂದು ತೀರ್ಮಾನವಾದದ್ದು

೧೫ ೧ ಬಳಿಕ ಕೆಲವರು ಯೂದಾಯದಿಂದ ಅಂತಿಯೋಕ್ಯಕ್ಕೆ ಬಂದು – ನೀವು ಮೋಶೆಯ
ಗ್ರಂಥದಲ್ಲಿ ಹೇಳಿರುವ ನೇಮದ ಪ್ರಕಾರ ಸುನ್ನತಿಮಾಡಿಸಿಕೊಳ್ಳದಿದ್ದರೆ ನಿಮಗೆ
ರಕ್ಷಣೆಯಾಗಲಾರದು ಎಂಬದಾಗಿ ಸಹೋದರರಿಗೆ ಉಪದೇಶಮಾಡುತ್ತಿದ್ದರು. ೨ ಅವರಿಗೂ
ಪೌಲ ಬಾರ್ನಬರಿಗೂ ಬೇದವೂ ಮಹಾ ವಿವಾದವೂ ಉಂಟಾದಾಗ ಇದ ವಿಷಯವಾಗಿ
ಸಹೋದರರು ಪೌಲ ಬಾರ್ನಬರನ್ನೂ ತಮ್ಮಲ್ಲಿಬೇರೆ ಕೆಲವರನ್ನೂ ಯೆರೂಸಲೇಮಿನಲ್ಲಿದ್ದ
ಅಪೊಸ್ತಲರ ಮತ್ತು ಸಭೆಯ ಹಿರಿಯರ ಬಳಿಗೆ ಹೋಗಬೇಕೆಂದು ನೇಮಿಸಿದರು.
೩ ಸಭೆಯವರು ಅವರನ್ನು ಸಾಗಕಳುಹಿಸಿದ ಮೇಲೆ ಅವರು ಫೊಯಿನಿಕೆ ಸಮಾರ್ಯ
ಸೀಮೆಗಳನ್ನು ಹಾದು ಹೋಗುತ್ತಿರುವಾಗ ಅನ್ಯಜನರು ಕರ್ತನ ಕಡೆಗೆ ತಿರುಗಿಕೊಂಡ
ಸಂಗತಿಯನ್ನು ಅಲ್ಲಿದ್ದ ಸಹೋದರರಿಗೆ ವಿವರವಾಗಿ ಹೇಳಿ ಅವರೆಲ್ಲರನ್ನು ಬಹಳವಾಗಿ
ಸಂತೋಷಪಡಿಸಿದರು. ೪ ಅವರು ಯೆರೂಸಲೇಮಿನಿಗೆ ಬಂದ ಮೇಲೆ ಸಭೆಯವರೂ
ಅಪೋಸ್ತಲರೂ ಸಭೆಯ ಹಿರಿಯರೂ ಅವರನ್ನು ಸೇರಿಸಿಕೊಂಡಾಗ ದೇವರು ತಮ್ಮೊಂದಿಗಿದ್ದು
ಮಾಡಿದ ಕಾರ್ಯಗಳನ್ನೆಲ್ಲಾ ಅವರಿಗೆ ತಿಳಿಸಿದರು. ೫ ಆದರೆ ಫರಿಸಾಯ ಮತದವರಲ್ಲಿ
ಯೇಸುವನ್ನು ನಂಬಿದ್ದ ಕೆಲವರು ಎದ್ದು – ದೇವರ ಕಡೆಗೆ ತಿರುಗಿಕೊಂಡಿರುವ ಅನ್ಯಜನರಿಗೆ
ಸುನ್ನತಿಮಾಡಿಸಬೇಕು, ಮತ್ತು ಮೋಶೆಯ ಧರ್ಮಶಾಸ್ತ್ರವನ್ನು ಕೈಕೊಂಡು ನಡೆಯುವದಕ್ಕೆ
ಅವರಿಗೆ ಅಪ್ಪಣೆಕೊಡಬೇಕು ಎಂದು ಹೇಳಿದರು. ೬ ಅಪೊಸ್ತಲರೂ ಸಭೆಯ ಹಿರಿಯರೂ ಈ
ವಿಷಯವನ್ನು ಕುರಿತು ಆಲೋಚಿಸುವದಕ್ಕೆ ಕೂಡಿ ಬಂದಿರುವಾಗ ಬಹು ವಿವಾದವು ನಡೆದ
ಮೇಲೆ ಪೇತ್ರನು ಎದ್ದು ಅವರಿಗೆ – ೭ ಸಹೋದರರೇ, ಅನ್ಯಜನರು ನನ್ನ ಬಾಯಿಂದ ಸುವಾರ್ತೆಯ
ವಾಕ್ಯವನ್ನು ಕೇಳಿ ನಂಬಬೇಕೆಂದು ದೇವರು ಬಹಳ ದಿವಸಗಳ ಕೆಳಗೆ ನಿಮ್ಮೊಳಗಿಂದ
ನನ್ನನ್ನು ಆರಿಸಿ ಕೊಂಡದ್ದು ನಿಮಗೇ ತಿಳಿದದೆ. ೮ ಮತ್ತು ಹೃದಯವನ್ನು ಬಲ್ಲವನಾಗಿರುವ
ದೇವರು ಹೇಗೆ ಪವಿತ್ರಾತ್ಮವರವನ್ನು ನಮಗೆ ದಯಪಾಲಿಸಿದನೋ ಹಾಗೇಯೇ ಅವರಿಗೂ
ದಯಪಾಲಿಸಿ ಅವರನ್ನು ತನ್ನ ಜನರೆಂದು ಸಾಕ್ಷಿಕೊಟ್ಟನು. ೯ ಇದಲ್ಲದೆ ಆತನು ನಮಗೂ ಅವರಿಗೂ
ಏನೂ ಭೇದಮಾಡದೆ ಅವರ ಹೃದಯಗಳನ್ನೂ ನಂಬಿಕೆಯ ಮೂಲಕವಾಗಿ ಶುದ್ಧೀಕರಿಸಿದನು.
೧೦ ಹೀಗಿರುವದರಿಂದ ನಮ್ಮ ಪಿತೃಗಳಾಗಲಿ ನಾವಾಗಲಿ ಹೊರಲಾಗದ ನೊಗವನ್ನು ನೀವು
ಶಿಷ್ಯರ ಹೆಗಲಿನ ಮೇಲೆ ಹಾಕಿ ದೇವರನ್ನು ಪರೀಕ್ಷಿಸುವದು ಯಾಕೆ? ೧೧ ಕರ್ತನಾದ ಯೇಸುವಿನ

ಕೃಪೆಯಿಂದಲೇ ನಾವು ರಕ್ಷಣೆ ಹೊಂದುವೆವೆಂಬದಾಗಿ ನಂಬುತ್ತೇವಲ್ಲಾ; ಹಾಗೆಯೇ ಅವರೂ
ಹೊಂದುವರು ಎಂದು ಹೇಳಿದನು. ೧೨ ೧೩ ೧೪ ಸಹೋದರರೇ, ನಾನು ಹೇಳುವದನ್ನು ಕೇಳಿರಿ –
ದೇವರು ಮೊದಲಲ್ಲಿ ಅನ್ಯಜನರನ್ನು ಕಟಾಕ್ಷಿಸಿನೋಡಿ ತನ್ನ ಹೆಸರಿಗಾಗಿ ಅವರೊಳಗಿಂದ
ಒಂದು ಪ್ರಜೆಯನ್ನು ಆರಿಸಿ ಕೊಂಡ ವಿಧವನ್ನು ಸಿಮೆಯೋನನು ವಿವರಿಸಿದನಷ್ಟೆ. ೧೫ ಇದಕ್ಕೆ
ಪ್ರವಾದಿಗಳ ಮಾತುಗಳೂ ಒಪ್ಪುತ್ತವೆ. ಹೇಗಂದರೆ –

೧೬ ಇದಾದ ಮೇಲೆ ನಾನು ಹಿಂತಿರುಗಿ ಬಂದು ದಾವೀದನ ಬಿದ್ದುಹೋಗಿರುವ ಗುಡಾರವನ್ನು
ಎತ್ತುವೆನು.
ಅವರಲ್ಲಿ ಹಾಳಾದದ್ದನ್ನು ನಾನು ಸರಿಮಾಡಿಸಿ
ಅದನ್ನು ನೆಟ್ಟಗೆ ನಿಲ್ಲಿಸುವೆನು.
೧೭ ಮನುಷ್ಯಜಾತಿಯ ಉಳಿದ ಜನಗಳೂ
ಅಂದರೆ ದೇವಜನರೆನಿಸಿಕೊಳ್ಳುವ ಸಕಲ ಜನಾಂಗಗಳೂ
ಕರ್ತನನ್ನು ಹುಡುಕುವವರಾಗಿರಬೇಕೆಂದು
೧೮ ಆದಿಯಿಂದ ಈ ಕಾರ್ಯಗಳನ್ನು ತಿಳಿಯಪಡಿಸುವ ಕರ್ತನು ನುಡಿಯುತ್ತಾನೆ

ಎಂದು ಬರೆದದೆ. ೧೯ ಹೀಗಿರಲಾಗಿ ನನ್ನ ಅಭಿಪ್ರಾಯ ಏನೆಂದರೆ – ಅನ್ಯಜನರಲ್ಲಿ ದೇವರ ಕಡೆಗೆ
ತಿರುಗಿಕೊಳ್ಳುವವರನ್ನು ತೊಂದರೆಪಡಿಸಬಾರದು. ೨೦ ಆದರೆ ವಿಗ್ರಹಕ್ಕೆ ನೈವೇದ್ಯಮಾಡಿದ್ದನ್ನೂ
ಹಾದರವನ್ನೂ ಕುತ್ತಿಗೆಹಿಸುಕಿ ಕೊಂದದ್ದನ್ನೂ ರಕ್ತವನ್ನೂ ವಿಸರ್ಜಿಸಬೇಕೆಂದು ನಾವು
ಅವರಿಗೆ ಕಾಗದವನ್ನು ಬರೆದು ಅಪ್ಪಣೆಕೊಡೋಣ. ೨೧ ಯಾಕಂದರೆ ಪುರಾತನಕಾಲದಿಂದ
ಎಲ್ಲಾ ಪಟ್ಟಣಗಳಲ್ಲಿ ಮೋಶೆಯ ಗ್ರಂಥವನ್ನು ಬೋಧಿಸುವವರು ಇದ್ದಾರೆ; ಅದು ಪ್ರತಿ
ಸಬ್ಬತ್‌ದಿನವೂ ಸಭಾಮಂದಿರಗಳಲ್ಲಿ ಪಾರಾಯಣವಾಗುತ್ತದಲ್ಲಾ ಎಂದು ಹೇಳಿದನು. ೨೨ ಆಗ
ಅಪೊಸ್ತಲರೂ ಸಭೆಯ ಹಿರಿಯರೂ ಸರ್ವಸಭೆಯ ಸಮ್ಮತಿಯಿಂದ ತಮ್ಮಲ್ಲಿ ಕೆಲವರನ್ನು
ಆರಿಸಿಕೊಂಡು ಪೌಲ ಬಾರ್ನಬರ ಜೊತೆಯಲ್ಲಿ ಅಂತಿಯೋಕ್ಯಕ್ಕೆ ಕಳುಹಿಸುವದು ಯುಕ್ತವೆಂದು
ತೀರ್ಮಾನಿಸಿದರು. ಆದಕಾರಣ ಸಹೋದರರಲ್ಲಿ ಮುಖ್ಯರಾಗಿದ್ದ ಬಾರ್ಸಬ್ಬನೆನಿಸಿಕೊಳ್ಳುವ
ಯೂದನನ್ನೂ ಸೀಲನನ್ನೂ ಆರಿಸಿಕೊಂಡು ೨೩ ಅವರ ಕೈಯಲ್ಲಿ ಬರೆದುಕೊಟ್ಟದ್ದೇನಂದರೆ
– ಸಹೋದರರಾಗಿರುವ ಅಪೊಸ್ತಲರೂ ಹಿರಿಯರೂ ಅಂತಿಯೋಕ್ಯ ಸಿರಿಯ ಕಿಲಿಕ್ಯ
ಸೀಮೆಗಳಲ್ಲಿ ವಾಸಿಸುವ ಅನ್ಯಜನರೊಳಗಿಂದ ಸಹೋದರರಾದವರಿಗೆ ಮಾಡುವ ವಂದನೆ;
೨೪ ಆದಾಗಿ ನಮ್ಮೊಳಗಿಂದ ಹೋದ ಕೆಲವರು ನಮ್ಮಿಂದ ಏನೂ ಅಪ್ಪಣೆ ಹೊಂದದೆ
ತಮ್ಮ ಮಾತುಗಳಿಂದ ನಿಮ್ಮಲ್ಲಿ ಅಸಮಾಧಾನವನ್ನು ಹುಟ್ಟಿಸಿ ನಿಮ್ಮ ಮನಸ್ಸುಗಳನ್ನು
ಕಳವಳಗೊಳಿಸಿದ್ದಾರೆಂಬದನ್ನು ಕೇಳಿದ್ದರಿಂದ ನಾವು ಕೆಲವರನ್ನು ಆರಿಸಿಕೊಂಡು ೨೫-೨೬ ನಮ್ಮ
ಕರ್ತನಾದ ಯೇಸು ಕ್ರಿಸ್ತನ ಹೆಸರಿನ ನಿಮಿತ್ತ ಜೀವದ ಹಂಗನ್ನ ತೊರೆದವರಾದ ನಮ್ಮ
ಪ್ರಿಯ ಬಾರ್ನಬ ಪೌಲರ ಜೊತೆಯಲ್ಲಿ ನಿಮ್ಮ ಬಳಿಗೆ ಕಳುಹಿಸಿ ಕೊಡುವದು ಯುಕ್ತವೆಂದು
ನಾವೆಲ್ಲರೂ ಏಕಮನಸ್ಸಾಗಿ ತೀರ್ಮಾನಿಸಿದೆವು. ೨೭ ಆದದರಿಂದ ಯೂದನನ್ನೂ ಸೀಲನನ್ನೂ
ಕಳುಹಿಸಿದ್ದೇವೆ. ಅವರು ಈ ಸಂಗತಿಗಳನ್ನು ಬಾಯಿಮಾತಿನಿಂದಲೂ ನಿಮಗೆ ತಿಳಿಸುವರು.
೨೮-೨೯ ವಿಗ್ರಹಕ್ಕೆ ನೈವೇದ್ಯಮಾಡಿದ್ದನ್ನೂ ರಕ್ತವನ್ನೂ ಕುತ್ತಿಗೆಹಿಸುಕಿ ಕೊಂದದ್ದನ್ನೂ ಹಾದರವನ್ನೂ
ವಿಸರ್ಜಿಸುವದು ಅವಶ್ಯವಾಗಿದೆ. ಇದಕ್ಕೆ ಹೆಚ್ಚಿನ ಭಾರವನ್ನು ನಿಮ್ಮ ಮೇಲೆ ಹಾಕಬಾರದೆಂದು
ಪವಿತ್ರಾತ್ಮನಿಗೂ ನಮಗೂ ವಿಹಿತವಾಗಿ ತೋರಿತು. ನೀವು ಎಚ್ಚರವಾಗಿದ್ದು ಇವುಗಳ ಕೊಡವೆಗೆ
ಹೋಗದಿದ್ದರೆ ನಿಮಗೆ ಒಳ್ಳೇದಾಗುವದು. ಶುಭವಾಗಲಿ. ೩೦ ಅವರು ಅಪ್ಪಣೆ ತೆಗೆದುಕೊಂಡು
ಅಂತಿಯೋಕ್ಯಕ್ಕೆ ಬಂದು ಮಂಡಲಿಯನ್ನು ಕೂಡಿಸಿ ಆ ಕಾಗದವನ್ನು ಅವರಿಗೆ ಒಪ್ಪಿಸಿದರು.
೩೧ ಅವರು ಓದಿ ಅದರಿಂದ ಧೈರ್ಯ ತಂದುಕೊಂಡು ಸಂತೋಷಪಟ್ಟರು. ೩೨ ಯೂದನೂ ಸೀಲನೂ
ತಾವೇ ಪ್ರವಾದಿಗಳಾಗಿದ್ದದರಿಂದ ಸಹೋದರರನ್ನು ಅನೇಕ ಮಾತುಗಳಿಂದ ಪ್ರಬೋಧಿಸಿ
ದೃಢಪಡಿಸಿದರು. ೩೩ ಅಲ್ಲಿ ಕೆಲವು ಕಾಲ ಕಳೆದ ನಂತರ ತಮ್ಮನ್ನು ಕಳುಹಿಸಿದ್ದವರ ಬಳಿಗೆ
ತಿರಿಗಿ ಹೋಗುವದಕ್ಕೆ ಸಹೋದರರಿಂದ ಅಪ್ಪಣೆ ತೆಗೆದುಕೊಂಡರು. ೩೪ ೩೫ ಆದರೆ ಪೌಲನೂ
ಬಾರ್ನಬನೂ ಅಂತಿಯೋಕ್ಯದಲ್ಲಿಯೇ ನಿಂತು ಬೇರೆ ಅನೇಕರೊಂದಿಗೆ ಉಪದೇಶಮಾಡುತ್ತಾ
ಕರ್ತನ ವಾಕ್ಯವೆಂಬ ಸುವಾರ್ತೆಯನ್ನು ಸಾರುತ್ತಾ ಇದ್ದರು.

### ಸುವಾರ್ತೆಯನ್ನು ಸಾರುವದಕ್ಕೆ ಪೌಲನು ಮಾಡಿದ ಎರಡನೆಯ ಪ್ರಯಾಣವನ್ನು ಕುರಿತದ್ದು (೧೫.೩೬-೧೮.೨೨). ಬಾರ್ನಬ ಮಾರ್ಕರು ಕುಪ್ರದ್ವೀಪಕ್ಕೆ ಬೇರೆ ಹೋದದ್ದು

೩೬ ಕೆಲವು ದಿವಸಗಳಾದ ಮೇಲೆ ಪೌಲನು ಬಾರ್ನಬನಿಗೆ – ನಾವು ಕರ್ತನ ವಾಕ್ಯವನ್ನು ಸಾರಿದ
ಎಲ್ಲಾ ಊರುಗಳಿಗೆ ತಿರಿಗಿ ಹೋಗಿ ಅಲ್ಲಿರುವ ಸಹೋದರರು ಹೇಗಿದ್ದಾರೆಂದು ನೋಡೋಣ
ಬಾ ಎಂದು ಹೇಳಿದನು. ೩೭ ಬಾರ್ನಬನು ಮಾರ್ಕನೆನಿಸಿಕೊಳ್ಳುವ ಯೋಹಾನನನ್ನು ೩೮ ತಮ್ಮ
ಸಂಗಡ ಕರೆದುಕೊಂಡುಹೋಗಬೇಕೆಂದಿದ್ದಾಗ ಪೌಲು – ನಮ್ಮೊಂದಿಗೆ ಕೆಲಸಕ್ಕೆ ಬಾರದೆ
ಪಂಫುಲ್ಯದಲ್ಲಿ ನಮ್ಮನ್ನು ಬಿಟ್ಟವನನ್ನು ಕರೆದುಕೊಂಡು ಹೋಗುವದು ತಕ್ಕದಲ್ಲವೆಂದು ನೆನಸಿದನು.
೩೯ ಈ ವಿಷಯದಲ್ಲಿ ತೀಕ್ಷ್ಣವಾಗ್ವಾದವುಂಟಾಗಿ ಅವರು ಒಬ್ಬರನ್ನೊಬ್ಬರು ಅಗಲಿದರು. ಬಾರ್ನಬನು
ಮಾರ್ಕನನ್ನು ಕರಕೊಂಡು ಸಮುದ್ರ ಮಾರ್ಗವಾಗಿ ಕುಪ್ರದ್ವೀಪಕ್ಕೆ ಹೋದನು. ೪೦ ಪೌಲನು ಸೀಲನನ್ನು
ಆರಿಸಿಕೊಂಡು ಸಹೋದರರಿಂದ ಕರ್ತನ ಕೃಪಾಶ್ರಯಕ್ಕೆ ಒಪ್ಪಿಸಲ್ಪಟ್ಟವನಾಗಿ ೪೧ ಹೊರಟು
ಸಿರಿಯಕಿಲಿಕ್ಯ ಸೀಮೆಗಳಲ್ಲಿ ಸಂಚರಿಸುತ್ತಾ ಸಭೆಗಳನ್ನು ದೃಢಪಡಿಸಿದನು.

### ಪೌಲನು ತಿಮೊಥೆಯನನ್ನು ಕೂಡಿಸಿಕೊಂಡದ್ದು ; ಕನಸಿನ ದೆಸೆಯಿಂದ ಮಕೆದೋನ್ಯಕ್ಕೆ ಹೋದದ್ದು

೧೬ ೧ ಆ ಮೇಲೆ ಅವನು ದೆರ್ಬೆಗೂ ಲುಸ್ತ್ರಕ್ಕೂ ಬಂದನು. ಲುಸ್ತ್ರದಲ್ಲಿ ತಿಮೊಥೆಯನೆಂಬ
ಒಬ್ಬ ಶಿಷ್ಯನಿದ್ದನು. ಅವನ ಕ್ರಿಸ್ತನನ್ನು ನಂಬಿದ್ದ ಒಬ್ಬ ಯೆಹೂದ್ಯ ಸ್ತ್ರೀಯ ಮಗನು.
ಅವನ ತಂದೆ ಗ್ರೀಕನು. ೨ ಅವನ ವಿಷಯವಾಗಿ ಲುಸ್ತ್ರದಲ್ಲಿಯೂ ಇಕೋನ್ಯದಲ್ಲಿಯೂ
ಇದ್ದ ಸಹೋದರರು ಒಳ್ಳೇ ಸಾಕ್ಷಿಹೇಳುತ್ತಿದ್ದರು. ೩ ಅವನು ತನ್ನ ಸಂಗಡ ಬರಬೇಕೆಂದು
ಪೌಲನು ಅಪೇಕ್ಷಿಸಿ ಆಯಾ ಸ್ಥಳಗಳಲ್ಲಿದ್ದ ಯೆಹೂದ್ಯರ ನಿಮಿತ್ತವಾಗಿ ಅವನಿಗೆ ಸುನ್ನತಿ
ಮಾಡಿಸಿದನು, ಯಾಕಂದರೆ ಅವನ ತಂದೆ ಗ್ರೀಕನೆಂದು ಎಲ್ಲರಿಗೂ ಗೊತ್ತಿತ್ತು. ೪ ಬಳಿಕ ಅವರು
ಊರೂರುಗಳಲ್ಲಿ ಸಂಚಾರಮಾಡುತ್ತಿರುವಾಗ ಯೆರೂಸಲೇಮಿನಲ್ಲಿದ್ದ ಅಪೊಸ್ತಲರೂ ಸಭೆಯ
ಹಿರಿಯರೂ ನಿರ್ಣಯಿಸಿದ್ದ ವಿಧಿಗಳನ್ನು ಅವರಿಗೆ ಒಪ್ಪಿಸಿ ಇವುಗಳನ್ನು ನೀವು ಅನುಸರಿಸಿ
ನಡೆಯಬೇಕೆಂದು ಬೋಧಿಸಿದರು. ೫ ಸಭೆಗಳು ಕ್ರಿಸ್ತನಂಬಿಕೆಯಲ್ಲಿ ದೃಢವಾಗುತ್ತಾ ಸಂಖ್ಯೆಯಲ್ಲಿ
ದಿನೇ ದಿನೇ ಹೆಚ್ಚುತ್ತಾ ಬಂದವು. ೬ ಆಸ್ಯಸೀಮೆಯಲ್ಲಿ ವಾಕ್ಯವನ್ನು ಹೇಳಬಾರದೆಂದು
ಪವಿತ್ರಾತ್ಮನು ತಡೆದದ್ದರಿಂದ ಅವರು ಫ್ರುಗ್ಯಗಲಾತ್ಯ ಸೀಮೆಯನ್ನು ೭ ಹಾದುಹೋಗಿ ಮೂಸ್ಯಕ್ಕೆ
ಎದುರಾಗಿ ಬಂದಾಗ ಬಿಥೂನ್ಯಕ್ಕೆ ಹೋಗುವ ಪ್ರಯತ್ನಮಾಡಿದರು. ಅಲ್ಲಿಯೂ ಯೇಸುವಿನ
ಆತ್ಮನು ಅವರನ್ನು ಹೋಗ ಗೊಡಿಸಲಿಲ್ಲ. ೮ ಆಗ ಅವರು ಮೂಸ್ಯವನ್ನು ಸುಮ್ಮನೆ ದಾಟಿ ತ್ರೋವಕ್ಕೆ
ಬಂದರು. ೯ ಅಲ್ಲಿ ರಾತ್ರಿಕಾಲದಲ್ಲಿ ಪೌಲನಿಗೆ ಒಂದು ದರ್ಶನವಾಯಿತು, ಏನಂದರೆ – ಮಕೆದೋನ್ಯ
ದೇಶದವನಾದ ಒಬ್ಬ ಮನುಷ್ಯನು ನಿಂತು ಕೊಂಡು – ನೀನು ಸಮುದ್ರವನ್ನು ದಾಟಿ ಮಕೆದೋನ್ಯಕ್ಕೆ
ಬಂದು ನಮಗೆ ನೆರವಾಗಬೇಕೆಂದು ಅವನನ್ನು ಬೇಡಿಕೊಳ್ಳುತ್ತಿದ್ದನು. ೧೦ ಅವನಿಗೆ ಆ
ದರ್ಶನವಾದ ಮೇಲೆ ಆ ಸೀಮೆಯವರಿಗೆ ಸುವಾರ್ತೆಯನ್ನು ಸಾರುವದಕ್ಕೆ ದೇವರು ನಮ್ಮನ್ನು
ಕರೆದಿದ್ದಾನೆಂದು ನಾವು ನಿಶ್ಚಯಿಸಿಕೊಂಡು ಕೂಡಲೆ ಮಕೆದೋನ್ಯಕ್ಕೆ ಹೊರಟುಹೋಗುವ
ಪ್ರಯತ್ನಮಾಡಿದೆವು. ೧೧ ನಾವು ತ್ರೋವದಿಂದ ಸಮುದ್ರ ಪ್ರಯಾಣಮಾಡಿ ನೆಟ್ಟಗೆ ಸಮೊಥ್ರಾಕೆಗೆ
ಬಂದು ಮರುದಿನ ನೆಯಾಪೊಲಿಗೆ ಸೇರಿ ಅಲ್ಲಿಂದ ಫಿಲಿಪ್ಪಿಗೆ ಮುಟ್ಟಿದೆವು.

### ಫಿಲಿಪ್ಪಿ ಪಟ್ಟಣದಲ್ಲಿ ಸಭೆಯನ್ನು ಸ್ಥಾಪಿಸಿದ್ದು; ಪೌಲ ಸೀಲರು ಸೆರೆಯಲ್ಲಿ ಬಿದ್ದದ್ದು; ಭೂಕಂಬ ಉಂಟಾಗಿ ಅವರು ಬಿಡಿಸಲ್ಪಟ್ಟದ್ದು

೧೨ ಫಿಲಿಪ್ಪಿ ಎಂಬದು ಮಕೆದೋನ್ಯದಲ್ಲಿ ಪ್ರಧಾನ ಪಟ್ಟಣವೂ ರೋಮಾಪುರದವರ ಒಂದು
ಪ್ರವಾಸ ಸ್ಥಾನವೂ ಆಗಿದೆ. ಈ ಪಟ್ಟಣದಲ್ಲಿ ನಾವು ಕೆಲವು ದಿವ ಇದ್ದೆವು. ೧೩ ನದೀತೀರದಲ್ಲಿ
ದೇವರ ಪ್ರಾರ್ಥನೆ ನಡೆಯುವ ಸ್ಥಳ ಇರುವದೆಂದು ನೆನಸಿ ಸಬ್ಬತ್‌ದಿನದಲ್ಲಿ ಊರ ಬಾಗಿಲಿನ
ಹೊರಗೆ ಹೋಗಿ ಅಲ್ಲಿ ಕೂಡಿಬಂದಿದ್ದ ಸ್ತ್ರೀಯರ ಸಂಗಡ ಕೂತುಕೊಂಡು ಮಾತಾಡಿದೆವು.
೧೪ ನಮ್ಮ ಮಾತುಗಳನ್ನು ಕೇಳಿದವರಲ್ಲಿ ಲುದ್ಯಳೆಂಬ ಒಬ್ಬ ಸ್ತ್ರೀಯು ಇದ್ದಳು. ಆಕೆ ಧೂಮ್ರವರ್ಣದ
ವಸ್ತ್ರಗಳನ್ನು ಮಾರುವವಳೂ ಥುವತ್ತೈರ ಎಂಬ ಊರಿನವಳೂ ದೇವಭಕ್ತಳೂ ಆಗಿದ್ದಳು. ಪೌಲನು
ಹೇಳಿದ ಮಾತುಗಳಿಗೆ ಲಕ್ಷ್ಯಕೊಡುವದಕ್ಕೆ ಕರ್ತನು ಆಕೆಯ ಹೃದಯವನ್ನು ತೆರೆದನು.
೧೫ ಆಕೆಯೂ ಆಕೆಯ ಮನೆಯವರೂ ದೀಕ್ಷಾಸ್ನಾನ ಮಾಡಿಸಿಕೊಂಡ ಮೇಲೆ ಆಕೆ – ನಾನು

ಕರ್ತನನ್ನು ನಂಬಿದವಳೆಂದು ನಿಶ್ಚಯಿಸಿಕೊಂಡಿದ್ದರೆ ನನ್ನ ಮನೆಯಲ್ಲಿ ಬಂದು ಇರ್ರಿ ಎಂದು
ಬೇಡಿಕೊಂಡು ನಮ್ಮನ್ನು ಬಲವಂತ ಮಾಡಿದಳು. ೧೬ ಬಳಿಕ ಪ್ರಾರ್ಥನೆ ನಡೆಯುವ ಆ ಸ್ಥಳಕ್ಕೆ
ನಾವು ಹೋಗುತ್ತಿರುವಾಗ ಗಾರುಡಗಾತಿಯಾದ ಒಬ್ಬ ದಾಸಿಯು ನಮ್ಮೆದುರಿಗೆ ಬಂದಳು. ಅವಳು
ಕಣಿ ಹೇಳುವದರಿಂದ ಅವಳ ಯಜಮಾನರಿಗೆ ಬಹು ಆದಾಯವಾಗುತ್ತಿತ್ತು. ೧೭ ಪೌಲನೂ ನಾವೂ
ಹೋಗುತ್ತಿರುವಾಗ ಅವಳು ಹಿಂದೆ ಬಂದು – ಈ ಮನುಷ್ಯರು ಪರಾತ್ಪರನಾದ ದೇವರ ದಾಸರು;
ನಿಮಗೆ ರಕ್ಷಣೆಯ ಮಾರ್ಗವನ್ನು ಸಾರುತ್ತಾರೆ ಎಂದು ಕೂಗುತ್ತಿದ್ದಳು. ೧೮ ಹೀಗೆ ಅನೇಕ ದಿವಸ
ಮಾಡಿದ್ದರಿಂದ ಪೌಲನು ಬಹಳವಾಗಿ ಬೇಸರಗೊಂಡು ಹಿಂತಿರುಗಿ ಆ ದೆವ್ವಕ್ಕೆ – ಅವಳನ್ನು
ಬಿಟ್ಟುಹೋಗು ಎಂದು ಯೇಸು ಕ್ರಿಸ್ತನ ಹೆಸರಿನಲ್ಲಿ ನಿನಗೆ ಅಪ್ಪಣೆ ಕೊಡುತ್ತೇನೆ ಎಂದು
ಹೇಳಿದನು. ಅದೇ ಗಳಿಗೆಯಲ್ಲಿಯೇ ಅದು ಬಿಟ್ಟು ಹೋಯಿತು. ೧೯ ಅವಳ ಯಜಮಾನರು
ತಮ್ಮ ಆದಾಯದ ನಿರೀಕ್ಷೆ ತಪ್ಪಿತಲ್ಲಾ ಎಂದು ತಿಳಿದು ಪೌಲನನ್ನೂ ಸೀಲನನ್ನೂ ಹಿಡಿದು
ಚಾವಡಿಗೆ ಅಧಿಕಾರಿಗಳ ಬಳಿಗೆ ಎಳಕೊಂಡು ಹೋದರು. ೨೦ ಅವರನ್ನು ಅಧಿಪತಿಗಳ ಮುಂದೆ
ತಂದು – ಈ ಮನುಷ್ಯರು ನಮ್ಮ ಪಟ್ಟಣವನ್ನು ಬಹಳವಾಗಿ ಗಲಿಬಿಲಿ ಮಾಡುತ್ತಾರೆ; ೨೧ ಇವರು
ಯೆಹೂದ್ಯರಾಗಿದ್ದು ರೋಮಾಯರಾದ ನಾವು ಅವಲಂಬಿಸಿ ನಡಿಸಕೂಡದಂಥ ಆಚಾರಗಳನ್ನು
ಪ್ರಕಟಿಸುತ್ತಾರೆ ಅಂದರು. ೨೨ ಆಗ ದೊಂಬೀ ಜನರು ಕೂಡಿ ಅವರಿಗೆ ವಿರೋಧವಾಗಿ
ಒಟ್ಟಾಗಿ ಎದ್ದರು; ಮತ್ತು ಅಧಿಪತಿಗಳು – ಇವರ ವಸ್ತ್ರಗಳನ್ನು ಹರಿದು ತೆಗೆದು ಚಡಿಗಳಿಂದ
ಹೊಡೆಯಬೇಕೆಂದು ಅಪ್ಪಣೆಕೊಟ್ಟರು. ೨೩ ಅವರಿಗೆ ಬಹಳ ಪೆಟ್ಟುಗಳನ್ನು ಹೊಡಿಸಿದ
ಮೇಲೆ ಸೆರೆಮನೆಯೊಳಗೆ ಹಾಕಿಸಿ – ಇವರನ್ನು ಭದ್ರವಾಗಿ ಕಾಯಬೇಕೆಂದು ಸೆರೆಯ
ಯಜಮಾನನಿಗೆ ಖಂಡಿತವಾಗಿ ಹೇಳಿದರು. ೨೪ ಅವನು ಇಂಥಾ ಅಪ್ಪಣೆಯನ್ನು ಹೊಂದಿ
ಅವರನ್ನು ಸೆರೆಮನೆಯ ಒಳಕೋಣೆಯಲ್ಲಿ ಹಾಕಿ ಅವರ ಕಾಲುಗಳಿಗೆ ಕೋಳವನ್ನು ಹಾಕಿ
ಬಿಗಿಸಿದನು. ೨೫ ಮಧ್ಯರಾತ್ರಿಯಲ್ಲಿ ಪೌಲನೂ ಸೀಲನೂ ಪ್ರಾರ್ಥನೆಮಾಡುವವರಾಗಿ ದೇವರಿಗೆ
ಸ್ತುತಿಪದಗಳನ್ನು ಹಾಡುತ್ತಿದ್ದರು; ಸೆರೆಯಲ್ಲಿದ್ದವರು ಲಕ್ಷ್ಯವಿಟ್ಟು ಕೇಳುತ್ತಿದ್ದರು. ೨೬ ಅಕಸ್ಮಾತ್ತಾಗಿ
ಮಹಾಭೂಕಂಪ ವುಂಟಾಯಿತು; ಸೆರೆಮನೆಯ ಅಸ್ತಿವಾರಗಳು ಕದಲಿದವು. ಅದೇ ಕ್ಷಣದಲ್ಲಿ
ಕದಗಳೆಲ್ಲಾ ತೆರೆದವು, ಎಲ್ಲರ ಬೇಡಿಗಳು ಕಳಚಿಬಿದ್ದವು. ೨೭ ಸೆರೆಯ ಯಜಮಾನನು
ನಿದ್ದೆಯಿಂದ ಎಚ್ಚತ್ತು ಸೆರೆಮನೆಯ ಕದಗಳು ತೆರೆದಿರುವದನ್ನು ಕಂಡು ಸೆರೆಯಲ್ಲಿದ್ದವರು
ಓಡಿಹೋದರೆಂದು ಭಾವಿಸಿ ಕತ್ತಿಯನ್ನು ಹಿರಿದು ಆತ್ಮಹತ್ಯ ಮಾಡಿಕೊಳ್ಳಬೇಕೆಂದಿದ್ದನು.
೨೮ ಆದರೆ ಪೌಲನು ಮಹಾ ಶಬ್ದದಿಂದ ಕೂಗಿ ಅವನಿಗೆ – ನೀನೇನೂ ಕೇಡುಮಾಡಿಕೊಳ್ಳಬೇಡ,
ನಾವೆಲ್ಲರೂ ಇಲ್ಲೇ ಇದ್ದೇವೆ ಎಂದು ಹೇಳಲು ೨೯ ಅವನು – ದೀಪ ತರಬೇಕೆಂದು ಕೂಗಿ
ಒಳಕ್ಕೆ ಹಾರಿ ನಡುಗುತ್ತಾ ಪೌಲ ಸೀಲರ ಮುಂದೆ ಬಿದ್ದನು. ೩೦ ಮತ್ತು ಅವರನ್ನು ಹೊರಗೆ
ಕರಕೊಂಡು ಬಂದು – ಸ್ವಾಮಿಗಳೇ, ನಾನು ರಕ್ಷಣೆಹೊಂದುವದಕ್ಕೆ ಏನು ಮಾಡಬೇಕೆಂದು
ಕೇಳಲು ೩೧ ಅವರು – ಕರ್ತನಾದ ಯೇಸುವಿನ ಮೇಲೆ ನಂಬಿಕೆಯಿಡು, ಆಗ ನೀನು ರಕ್ಷಣೆ
ಹೊಂದುವಿ, ನಿನ್ನ ಮನೆಯವರೂ ರಕ್ಷಣೆಹೊಂದುವರು ಎಂದು ಹೇಳಿ ಅವನಿಗೂ ಅವನ
ಮನೆಯಲ್ಲಿದ್ದವರೆಲ್ಲರಿಗೂ ದೇವರ ವಕ್ಯವನ್ನು ತಿಳಿಸಿದರು. ೩೨ ಆ ಮೇಲೆ ಅವನು ರಾತ್ರಿಯ
೩೩ ಅದೇ ಗಳಿಗೆಯಲ್ಲಿ ಅವರನ್ನು ಕರಕೊಂಡು ಹೋಗಿ ಅವರ ಗಾಯಗಳನ್ನು ತೊಳೆದು ಕೂಡಲೆ
ತಾನೂ ತನ್ನವರೆಲ್ಲರ ಸಹಿತವಾಗಿ ದೀಕ್ಷಾಸ್ನಾನಮಾಡಿಸಿ ಕೊಂಡನು. ೩೪ ತರುವಾಯ ಅವರನ್ನು
ತನ್ನ ಮನೆಗೆ ಕರಕೊಂಡುಹೋಗಿ ಊಟಮಾಡಿಸಿದನು. ಅವನು ತನ್ನ ಮನೆಯವರೆಲ್ಲರ ಸಂಗಡ
ನಂಬಿ ಉಲ್ಲಾಸ ಗೊಂಡನು. ೩೫ ಬೆಳಗಾದ ಮೇಲೆ ಅಧಿಪತಿಗಳು ಆ ಮನುಷ್ಯರನ್ನು ಬಿಟ್ಟುಬಿಡು
ಎಂದು ಜವಾನರ ಕೈಯಲ್ಲಿ ಹೇಳಿ ಕಳುಹಿಸಿದರು. ೩೬ ಸೆರೇಯಜಮಾನನು ಈ ಮಾತನ್ನು
ಪೌಲನಿಗೆ ತಿಳಿಸಿ – ಅಧಿಪತಿಗಳು ನಿಮ್ಮನ್ನು ಬಿಟ್ಟುಬಿಡಬೇಕೆಂದು ಹೇಳಿಕಳುಹಿಸಿದ್ದಾರೆ,
ಅದದರಿಂದ ಈಗ ನೀವು ಸಮಾಧಾನದಿಂದ ಹೊರಟುಹೋಗಿರಿ ಎಂದು ಹೇಳಿದನು. ೩೭ ಅದಕ್ಕೆ
ಪೌಲನು – ಅವರು ವಿಚಾರಣೆಮಾಡದೆ ರೋಮಾಪುರದ ಹಕ್ಕುದಾರರಾದ ನಮ್ಮನ್ನು ಎಲ್ಲರ
ಮುಂದೆ ಹೊಡಿಸಿ ಸೆರೆಮನೆಯೊಳಗೆ ಹಾಕಿಸಿದರು; ಈಗ ನಮ್ಮನ್ನು ಗುಪ್ತವಾಗಿ ಹೊರಗೆ
ಕಳುಹಿಸುತ್ತಾರೋ? ಹಾಗೆ ಎಂದಿಗೂ ಆಗಕೂಡದು; ಅವರೇ ಬಂದು ನಮ್ಮನ್ನು ಹೊರಗೆ
ಕರಕೊಂಡುಹೋದರೆ ಸರಿ ಎಂದು ಹೇಳಿದನು. ೩೮ ಜವಾನರು ಈ ಮಾತುಗಳನ್ನು ಅಧಿಪತಿಗಳಿಗೆ
ತಿಳಿಸಿದಾಗ ರೋಮಾಪುರದ ಹಕ್ಕುದಾರರು ಎಂಬ ಮಾತನ್ನು ಅವರು ಕೇಳಿ ಭಯಪಟ್ಟರು; ೩೯ ಮತ್ತು
ಅವರ ಬಳಿಗೆ ಹೋಗಿ ವಿನಯವಾಗಿ ಮಾತಾಡಿ ಹೊರಕ್ಕೆ ಕರೆದುಕೊಂಡು ಬಂದು – ನೀವು
ಊರನ್ನು ಬಿಟ್ಟುಹೋಗಬೇಕೆಂದು ಬೇಡಿಕೊಂಡರು. ೪೦ ಆಗ ಅವರು ಸೆರೆಮನೆಯೊಳಗಿಂದ

ಹೊರಟು ಲುದ್ಯಳ ಮನೆಗೆ ಬಂದು ಸಹೋದರರನ್ನು ನೋಡಿ ಅವರನ್ನು ಧೈರ್ಯಗೊಳಿಸಿ
ಹೊರಟುಹೋದರು.

### ಥೆಸಲೋನೀಕದಲ್ಲಿ ಪೌಲನು ಸಭೆಯನ್ನು ಸ್ಥಾಪಿಸಿದ ಮೇಲೆ ಯೆಹೂದ್ಯರು ಅವನನ್ನು ಹೊರಡಿಸಿದ್ದು

೧೭ ೧ ಮುಂದೆ ಅವರು ಮಾರ್ಗಹಿಡಿದು ಅಂಫಿಫೊಲಿ ಅಪೊಲೋನ್ಯ ಎಂಬ ಊರುಗಳನ್ನು
ದಾಟಿ ಥೆಸಲೋನೀಕಕ್ಕೆ ಬಂದರು. ಅಲ್ಲಿ ಯೆಹೂದ್ಯರದೊಂದು ಸಭಾಮಂದಿರವಿತ್ತು.
೨ ಪೌಲನು ತನ್ನ ಪದ್ಧತಿಯ ಪ್ರಕಾರ ಅಲ್ಲಿದ್ದವರ ಬಳಿಗೆ ಹೋಗಿ ಮೂರು ಸಬ್ಬತ್ ದಿನಗಳಲ್ಲಿ
ಶಾತ್ರಧಾರದಿಂದ ಅವರ ಸಂಗಡ ವಾದಿಸಿ ೩ ಆಯಾ ವಚನಗಳ ಅರ್ಥನ್ನು ಬಿಚ್ಚಿ – ಕ್ರಿಸ್ತನು
ಬಾಧೆಯನ್ನನುಭವಿಸಿ ಸತ್ತು ಎದ್ದು ಬರುವದು ಅಗತ್ಯವೆಂತಲೂ ನಾನು ನಿಮಗೆ ಪ್ರಸಿದ್ಧಿಪಡಿಸುವ
ಯೇಸುವೇ ಆ ಕ್ರಿಸ್ತನೆಂತಲೂ ಸ್ಥಾಪಿಸಿದನು. ೪ ಅವರಲ್ಲಿ ಕೆಲವರೂ ದೇವಭಕ್ತರಾದ ಗ್ರೀಕರಲ್ಲಿ
ದೊಡ್ಡ ಗುಂಪೂ ಪ್ರಮುಖ ಸ್ತ್ರೀಯರಲ್ಲಿ ಅನೇಕರೂ ಒಡಂಬಟ್ಟು ಪೌಲ ಸೀಲರನ್ನು ಸೇರಿಕೊಂಡರು.
೫ ಯೆಹೂದ್ಯರು ಹೊಟ್ಟೇಕಿಚ್ಚುಪಟ್ಟು ಪೇಟೆಯಲ್ಲಿ ತಿರುಗಾಡುವ ಕೆಲವು ಪೋಕರನ್ನು
ಕರೆದು ಕೊಂಡು ಬಂದು ಗುಂಪುಕೂಡಿಸಿ ಊರಲ್ಲಿ ಗದ್ದಲ ಎಬ್ಬಿಸಿ ಪೌಲ ಸೀಲರನ್ನು ಪಟ್ಟಣದ
ಸಭೆಗೆದುರಿಗೆ ತರಬೇಕೆಂದು ಅವರನ್ನು ಹುಡುಕುತ್ತಾ ಯಾಸೋನನ ಮನೆಯ ಮೇಲೆ ಬಿದ್ದರು.
೬ ಅವರು ಸಿಕ್ಕದೆ ಹೋದದ್ದರಿಂದ ಆ ಜನರು ಯಾಸೋನನನ್ನೂ ಕೆಲವು ಮಂದಿ ಸಹೋದರರನ್ನೂ
ಊರಿನ ಅಧಿಕಾರಿಗಳ ಬಳಿಗೆ ಎಳಕೊಂಡು ಹೋಗಿ – ಲೋಕವನ್ನು ಅಲ್ಲಕಲ್ಲೋಲ ಮಾಡಿದ
ಆ ಮನುಷ್ಯರು ಇಲ್ಲಿಗೂ ಬಂದಿದ್ದಾರೆ, ೭ ಯಾಸೋನನು ಅವರನ್ನು ಸೇರಿಸಿಕೊಂಡಿದ್ದಾನೆ,
ಅವರೆಲ್ಲರು ಯೇಸುವೆಂಬ ಬೇರೊಬ್ಬ ಅರಸನು ಇದ್ದಾನೆಂದು ಹೇಳಿ ಚಕ್ರವರ್ತಿಯ ಆಜ್ಞೆಗಳಿಗೆ
ವಿರುದ್ಧವಾಗಿ ನಡೆಯುತ್ತಾರೆ ಎಂದು ಕೂಗಿದರು. ೮ ಪಟ್ಟಣದವರೂ ಪಟ್ಟಣದ ಅಧಿಕಾರಿಗಳೂ
ಈ ಮಾತುಗಳನ್ನು ಕೇಳಿ ಕಳವಳಪಟ್ಟು ೯ ಯಾಸೋನ ಮೊದಲಾದವರಿಂದ ಹೋಣೆ
ತೆಗೆದುಕೊಂಡರು; ತೆಗೆದುಕೊಂಡ ಮೇಲೆ ಅವರನ್ನು ಬಿಟ್ಟುಬಿಟ್ಟರು.

### ಬೆರೋಯ ಊರಿನವರು ದೇವರ ವಾಕ್ಯವನ್ನು ಚೆನ್ನಾಗಿ ಕೇಳಿದ್ದು, ಥೆಸಲೋನೀಕದವರು ಅಲ್ಲಿಯೂ ಬಂದು ಜನರನ್ನು ರೇಗಿಸಿದ್ದರಿಂದ ಪೌಲನು ಅಥೇನೆ ಪಟ್ಟಣಕ್ಕೆ

ಹೊರಟುಹೋದದ್ದು ೧೦ ಕೂಡಲೇ ಸಹೋದರರು ರಾತ್ರಿಯಲ್ಲಿ ಪೌಲಸೀಲರನ್ನು ಬೆರೋಯಕ್ಕೆ
ಕಳುಹಿಸಿಬಿಟ್ಟರು. ಅವರು ಅಲ್ಲಿಗೆ ಸೇರಿ ಯೆಹೂದ್ಯರ ಸಭಾಮಂದಿರದೊಳಕ್ಕೆ ಹೋದರು.
೧೧ ಆ ಸಭೆಯವರು ಥೆಸಲೋನೀಕದವರಿಗಿಂತ ಸದ್ಗುಣವುಳ್ಳವರಾಗಿದ್ದು ದೇವರ ವಾಕ್ಯವನ್ನು ಸಿದ್ಧ
ಮನಸ್ಸಿನಿಂದ ಅಂಗೀಕರಿಸಿ ಇವರು ಹೇಳುವ ಮಾತು ಹೌದೋ ಏನೋ ಎಂಬ ವಿಷಯದಲ್ಲಿ
ಪ್ರತಿದಿನವೂ ಶಾಸ್ತ್ರಗ್ರಂಥಗಳನ್ನು ಶೋಧಿಸುತ್ತಿದ್ದರು. ೧೨ ಹೀಗಿರಲಾಗಿ ಅವರಲ್ಲಿ ಬಹಳ
ಮಂದಿ ನಂಬಿದರು; ಅದಲ್ಲದೆ ಕುಲೀನರಾದ ಗ್ರೀಕ್‌ಹೆಂಗಸರಲ್ಲಿಯೂ ಗಂಡಸರಲ್ಲಿಯೂ
ಅನೇಕರು ನಂಬಿದರು. ೧೩ ಆದರೆ ಪೌಲನು ಬೆರೋಯದಲ್ಲಿಯೂ ದೇವರ ವಾಕ್ಯವನ್ನು
ಪ್ರಸಿದ್ಧಿಪಡಿಸುತ್ತಾನೆಂಬ ವರ್ತಮಾನವು ಥೆಸಲೋನಿಕದ ಯೆಹೂದ್ಯರಿಗೆ ತಿಳಿದು
ಬಂದಾಗ ಅವರು ಅಲ್ಲಿಗೂ ಬಂದು ಜನರಗುಂಪುಗಳನ್ನು ರೇಗಿಸಿ ಕಲಕಿದರು. ೧೪ ಕೂಡಲೇ
ಸಹೋದರರು ಪೌಲನನ್ನು ಸಮುದ್ರದ ತನಕ ಹೋಗುವದಕ್ಕೆ ಕಳುಹಿಸಿಕೊಟ್ಟರು. ಆದರೆ
ಸೀಲನೂ ತಿಮೊಥೆಯನೂ ಅಲ್ಲೇ ನಿಂತರು. ೧೫ ಪೌಲನನ್ನು ಸಾಗಕಳುಹಿಸಿದವರು ಅವನನ್ನು
ಅಥೇನೆಯವರೆಗೂ ಕರೆದುಕೊಂಡು ಹೋಗಿ – ಸೀಲನನ್ನೂ ತಿಮೊಥೆಯನನ್ನೂ ಕೂಡಿದ
ಮಟ್ಟಿಗೆ ಬೇಗ ನನ್ನ ಬಳಿಗೆ ಬರಹೇಳಿರಿ ಎಂದು ಅಪ್ಪಣೆಯನ್ನು ಅವನಿಂದ ಹೊಂದಿ
ಹೊರಟುಬಂದರು.

### ಅಥೇನೆ ಪಟ್ಟಣದಲ್ಲಿ ಪೌಲನು ತತ್ವವಿಚಾರಕರಿಗೆ ಉಪನ್ಯಾಸಮಾಡಿದ್ದು

೧೬ ಪೌಲನು ಅವರಿಗೋಸ್ಕರ ಅಥೇನೆಯಲ್ಲಿ ಕಾದು ಕೊಂಡಿರುವಾಗ ಆ ಪಟ್ಟಣದಲ್ಲಿ
ಎಲ್ಲೆಲ್ಲಿಯೂ ವಿಗ್ರಹಗಳೇ ಇರುವದನ್ನು ನೋಡಿ ಅವನ ಮನಸ್ಸು ಅವನೊಳಗೆ ಕುದಿಯಿತು.
೧೭ ಆದದರಿಂದ ಅವನು ಸಭಾಮಂದಿರದಲ್ಲಿ ಯೆಹೂದ್ಯರ ಮತ್ತು ಯೆಹೂದ್ಯ ಮತಾವಲಂಬಿಗಳ
ಸಂಗಡಲೂ ಪ್ರತಿದಿನ ಪೇಟೆಯಲ್ಲಿ ಕಂಡುಬಂದವರ ಸಂಗಡಲೂ ವಾದಿಸಿದನು. ೧೮ ಇದಲ್ಲದೆ
ಎಪಿಕೂರಿಯರು ಸ್ತೋಯಿಕರು ಎಂಬ ತತ್ವವಿಚಾರಕರಲ್ಲಿ ಕೆಲವರು ಅವನ ಸಂಗಡ

ಚರ್ಚೆಮಾಡಿದರು. ಅವರಲ್ಲಿ ಕೆಲವರು – ಈ ಮಾತಾಳಿ ಏನು ಹೇಳಬೇಕೆಂದಿದ್ದಾನೆ? ಅಂದರು.
ಅವನು ಯೇಸುವಿನ ವಿಷಯವಾಗಿಯೂ ಸತ್ತವರು ಎದ್ದುಬರುವರೆಂಬುವ ವಿಷಯವಾಗಿಯೂ
ಸತ್ತವರು ಎದ್ದುಬರುವ ರೆಂಬುವ ವಿಷಯವಾಗಿಯೂ ಸಾರುತ್ತಿದ್ದರಿಂದ – ಇವನು ಅನ್ಯದೇಶದ
ದೈವಗಳನ್ನು ಪ್ರಸಿದ್ಧಿಪಡಿಸುವವನಾಗಿ ತೋರುತ್ತಾನೆಂದು ಬೇರೆ ಕೆಲವರು ಹೇಳಿದರು.
೧೯ ಅವರು ಅವನನ್ನು ಹಿಡಿದು ಅರಿಯೊಪಾಗಕ್ಕೆ ಕರೆದುಕೊಂಡು ಹೋಗಿ – ನೀನು ಹೇಳುವ
ಈ ನೂತನತರವಾದ ಉಪದೇಶವನ್ನು ನಾವು ತಿಳಿಯಬಹುದೇ? ೨೦ ಅಪೂರ್ವವಾದ ಸಂಗತಿಗಳನ್ನು
ನಮಗೆ ಶ್ರುತಪಡಿಸುತ್ತೀಯಲ್ಲಾ; ಆದಕಾರಣ ಅವೇನಿದ್ದಾವು ತಿಳಯಬೇಕೆಂದು ನಮಗೆ
ಅಪೇಕ್ಷೆಯದೆ ಅಂದರು. ೨೧ ಅಥೇನೆಯರೂ ಅಲ್ಲಿ ವಾಸವಾಗಿದ್ದ ಪರಸ್ಥಳದವರೂ ಹೊಸ
ಹೊಸ ಸಂಗತಿಗಳನ್ನು ಹೇಳುವದಕ್ಕೂ ಕೇಳುವದಕ್ಕೂ ಹೊರತು, ಬೇರೆ ಯಾವದಕ್ಕೂ ಸಮಯ
ಕೊಡುತ್ತಿರಲಿಲ್ಲ. ೨೨ ಪೌಲನು ಅರಿಯೊಪಾಗದ ಮಧ್ಯದಲ್ಲಿ ನಿಂತು ಕೊಂಡು ಹೇಳಿದ್ದೇನಂದರ –
ಅಥೇನೆಯ ಜನರೇ, ನೀವು ಎಲ್ಲಾದರಲ್ಲೂ ಅತಿ ಭಕ್ತಿವಂತರೆಂದು ನನಗೆತೋರುತ್ತದೆ.
೨೩ ನಾನು ನಿಮ್ಮ ಪಟ್ಟಣದಲ್ಲಿ ತಿರುಗಾಡುತ್ತಾ ನೀವು ಪೂಜಿಸುವ ದೇವತಾ ಪ್ರತಿಮೆಗಳನ್ನು
ಚೆನ್ನಾಗಿ ನೋಡುತ್ತಾ ಇದ್ದಾಗ ಒಂದು ಬಲಿಪೀಠವು ನನ್ನ ಕಣ್ಣಿಗೆ ಬಿತ್ತು; ಅದರ ಮೇಲೆ ತಿಳಿಯದ
ದೇವರಿಗೆ ಎಂದು ಬರೆದಿತ್ತು; ಆದಕಾರಣ ನೀವು ಯಾವದನ್ನು ತಿಳಿಯದೆ ಪೂಜಿಸುತ್ತೀರೋ
ಅದನ್ನೇ ನಿಮಗೆ ತಿಳಿಯಪಡಿಸುತ್ತೇನೆ, ಕೇಳಿರಿ. ೨೪ ಜಗತ್ತನ್ನೂ ಅದರಲ್ಲಿರುವ ಎಲ್ಲಾ
ವಸ್ತುಗಳನ್ನೂ ಉಂಟುಮಾಡಿದ ದೇವರು ಭೂಮ್ಯಾಕಾಶಗಳ ಒಡೆಯನಾಗಿರುವದರಿಂದ
ಆತನು ಕೈಯಿಂದ ಕಟ್ಟಿರುವ ಗುಡಿಗಳಲ್ಲಿ ವಾಸಮಾಡುವವನಲ್ಲ; ೨೫ ತಾನೇ ಎಲ್ಲರಿಗೂ
ಜೀವಶ್ವಾಸ ಮುಂತಾದದ್ದೆಲ್ಲವನ್ನೂ ಕೊಡುವವನಾಗಿರಲಾಗಿ ಕೊರತೆಯಿದ್ದವನಂತೆ ಮನುಷ್ಯರ
ಕೈಗಳಿಂದ ಸೇವೆಹೊಂದುವವನೂ ಅಲ್ಲ. ೨೬ ಆತನು ಒಬ್ಬನಿಂದಲೇ ಎಲ್ಲಾ ಜನಾಂಗದವರನ್ನು
ಹುಟ್ಟಿಸಿ ಅವರವರು ಇರತಕ್ಕ ಕಾಲಗಳನ್ನೂ ಅವರವರ ನಿವಾಸಗಳ ಮೇರೆಗಳನ್ನೂ ನಿಷ್ಕರ್ಷಿಸಿ
ಭೂಮಂಡಲದಲ್ಲೆಲ್ಲಾ ವಾಸಮಾಡಿಸಿ ೨೭ ಒಂದು ವೇಳೆ ಅವರು ತಡವಾಡಿ ಕಂಡುಕೊಂಡಾರೇನೋ
ಎಂದು ತನ್ನನ್ನು ಹುಡುಕುವವರನ್ನಾಗಿ ಮಾಡಿದನು. ಆತನು ನಮ್ಮಲ್ಲಿ ಒಬ್ಬನಿಗೂ ದೂರವಾದವನಲ್ಲ.
೨೮ ಆತನಲ್ಲಿಯೇ ನಾವು ಜೀವಿಸುತ್ತೇವೆ, ಚಲಿಸುತ್ತೇವೆ, ಇರುತ್ತೇವೆ. ನಿಮ್ಮ ಕವಿಗಳಲ್ಲಿಯೂ
ಕೆಲವರು – ನಾವು ಆತನ ಸಂತಾನದವರೇ ಎಂಬದಾಗಿ ಹೇಳಿದ್ದಾರೆ. ೨೯ ನಾವು ದೇವರ
ಸಂತಾನದವರಾಗಿದ್ದ ಮೇಲೆ ದೈವವು ಮನುಷ್ಯನ ಶಿಲ್ಪವಿದ್ಯೆಯಿಂದಲೂ ಕಲ್ಪನೆಯಿಂದಲೂ
ಕೆತ್ತಿರುವ ಚಿನ್ನ ಬೆಳ್ಳಿ ಕಲ್ಲುಗಳಿಗೆ ಸಮಾನವೆಂದು ನಾವು ಭಾವಿಸಬಾರದು. ೩೦ ಆ
ಅಜ್ಞಾನಕಾಲಗಳನ್ನು ದೇವರು ಲಕ್ಷ್ಯಕ್ಕೆ ತರಲಿಲ್ಲ; ಈಗಲಾದರೋ ಆತನು ನಾಲ್ಕು ದಿಕ್ಕಿನಲ್ಲಿರುವ
ಮನುಷ್ಯರೆಲ್ಲರೂ ತನ್ನ ಕಡೆಗೆ ತಿರುಗಿಕೊಳ್ಳಬೇಕೆಂದು ಅಪ್ಪಣೆಕೊಡುತ್ತಾನೆ. ೩೧ ಯಾಕಂದರೆ
ಆತನು ನಿಷ್ಕರ್ಷೆಮಾಡಿದ ಪುರುಷನ ಕೈಯಿಂದ ನೀತಿಗನುಸಾರವಾಗಿ ಭೂಲೋಕದ
ನ್ಯಾಯ ವಿಚಾರಣೆ ಮಾಡುವದಕ್ಕೆ ಒಂದು ದಿವಸವನ್ನು ಗೊತ್ತು ಮಾಡಿದ್ದಾನೆ. ಅವನನ್ನು
ಸತ್ತವರೊಳಗಿಂದ ಎಬ್ಬಿಸಿದ್ದರಲ್ಲಿ ಇದನ್ನು ನಂಬುವದಕ್ಕೆ ಎಲ್ಲರಿಗೂ ಆಧಾರ ಕೊಟ್ಟಿದ್ದಾನೆ
ಅಂದನು. ೩೨ ಸತ್ತವರು ಎದ್ದುಬರುವ ವಿಷಯವನ್ನು ಕೇಳಿದಾಗ ಕೆಲವರು ಅಪಹಾಸ್ಯಮಾಡಿದರು;
ಬೇರೆ ಕೆಲವರು – ನೀನು ಈ ವಿಷಯದಲ್ಲಿ ಹೇಳುವದನ್ನು ನಾವು ಇನ್ನೊಂದು ಸಾರಿ ಕೇಳುತ್ತೇವೆ
ಅಂದರು. ೩೩ ಹೀಗಿರಲು ಪೌಲನು ಅವರ ಮಧ್ಯದಿಂದ ಹೊರಟುಹೋದನು. ೩೪ ಕೆಲವರು
ಅವನನ್ನು ಅಂಟಿಕೊಂಡು ನಂಬಿದರು; ನಂಬಿದವರಲ್ಲಿ ಅರಿಯೋಪಾಗದ ಸಭೆಯವನಾದ
ದಿಯೊನುಸ್ಯನೂ ದಾಮರಿಯೆಂಬಾಕೆಯೂ ಇನ್ನೂ ಕೆಲವರೂ ಇದ್ದರು.

## ಪೌಲನು ಕೊರಿಂಥದಲ್ಲಿ ಒಂದುವರೆ ವರುಷವಿದ್ದು ಸುವಾರ್ತೆಯನ್ನು ಸಾರಿದ್ದು; ಅಂತಿಯೋಕ್ಯಕ್ಕೆ ತಿರಿಗಿ ಬಂದದ್ದು

೧೮ ೧ ಇದಾದ ಮೇಲೆ ಪೌಲನು ಅಥೇನೆಯನ್ನು ಬಿಟ್ಟು ಕೊರಿಂಥಕ್ಕೆ ಹೋದನು.
೨ ಪೊಂತದಲ್ಲಿ ಹುಟ್ಟಿದ ಅಕ್ವಿಲನೆಂಬ ಒಬ್ಬ ಯೆಹೂದ್ಯನನ್ನು ಅಲ್ಲಿ ಕಂಡನು.
ಯೆಹೂದ್ಯರೆಲ್ಲರೂ ರೋಮಾಪುರವನ್ನು ಬಿಟ್ಟುಹೋಗ ಬೇಕೆಂದು ಕ್ಲೌದಿಯ ಚಕ್ರವರ್ತಿಯು
ವಿಧಿಸಿದಕಾರಣ ಅಕ್ವಿಲನೂ ಅವನ ಹೆಂಡತಿಯಾದ ಪ್ರಿಸ್ಕಿಲ್ಲಳೂ ಕೆಲವು ದಿವಸಗಳ
ಮುಂಚೆ ಇತಾಲ್ಯ ದೇಶದಿಂದ ಅಲ್ಲಿಗೆ ಬಂದಿದ್ದರು. ೩ ಪೌಲನು ಅವರ ಮನೆಗೆ ಹೋಗಿ
ತಾನೂ ಅವರೂ ಒಂದೇ ಕಸಬಿನವರಾಗಿದ್ದದರಿಂದ ಅವರಲ್ಲಿದ್ದು ಅವರೊಂಪಿಗೆ
ಕೆಲಸಮಾಡುತ್ತಿದ್ದನು; ಗುಡಾರಮಾಡುವದು ಅವರ ಕಸಬಾಗಿತ್ತು. ೪ ಅವನು ಪ್ರತಿಸಬ್ಬತ್

ದಿನವೂ ಸಭಾಮಂದಿರದಲ್ಲಿ ಚರ್ಚಿಸಿ ಯೆಹೂದ್ಯರನ್ನೂ ಗ್ರೀಕರನ್ನೂ ಒಡಂಬಡಿಸುತ್ತಿದ್ದನು.
೫ ಸೀಲನೂ ತಿಮೊಥೆಯನೂ ಮಕೆದೋನ್ಯದಿಂದ ಬಂದಾಗ ಪೌಲನು ದೇವರ ವಾಕ್ಯವನ್ನು
ಬೋಧಿಸುವದರಲ್ಲಿ ಅತ್ಯಾಸಕ್ತಿಯುಳ್ಳವನಾಗಿ ಯೇಸುವೇ ಬರಬೇಕಾದ ಕ್ರಿಸ್ತನೆಂದು
ಯೆಹೂದ್ಯರಿಗೆ ಖಂಡಿತವಾಗಿ ಸಾಕ್ಷಿಹೇಳಿದನು. ೬ ಅವರು ಎದುರಿಸಿ ದೂಷಿಸಲಾಗಿ
ಅವನು ತನ್ನ ವಸ್ತ್ರಗಳನ್ನು ಝಾಡಿಸಿ ಅವರಿಗೆ – ನಿಮ್ಮ ನಾಶನಕ್ಕೆ ನೀವೇ ಹೊಣೆ. ನಾನು
ಇಂದಿನಿಂದ ಶುದ್ಧಮನಸ್ಸುಳ್ಳವನಾಗಿ ಅನ್ಯಜನರ ಬಳಿಗೆ ಹೋಗುತ್ತೇನೆ ಎಂದು ಹೇಳಿ
೭ ಆ ಸ್ಥಳವನ್ನು ಬಿಟ್ಟು ದೇವರಿಗೆ ಭಯಪಡುವವನಾಗಿದ್ದ ತೀತ ಯುಸ್ತನೆಂಬವನ ಮನೆಗೆ
ಹೋದನು. ಅವನ ಮನೆ ಸಭಾಮಂದಿರದ ಮಗ್ಗುಲಲ್ಲೇ ಇತ್ತು. ೮ ಸಭಾಮಂದಿರದ ಅಧ್ಯಕ್ಷನಾದ
ಕ್ರಿಸ್ಪನು ತನ್ನ ಮನೆಯವರೆಲ್ಲರ ಸಹಿತ ಕರ್ತನಲ್ಲಿ ನಂಬಿಕೆಯಿಟ್ಟನು. ಮತ್ತು ಕೊರಿಂಥದವರಲ್ಲಿ
ಅನೇಕರು ಕೇಳಿ ನಂಬಿ ದೀಕ್ಷಾಸ್ನಾನಮಾಡಿಸಿಕೊಂಡರು. ೯ ಇದಲ್ಲದೆ ಕರ್ತನು ರಾತ್ರಿಕಾಲದಲ್ಲಿ
ಪೌಲನಿಗೆ ದರ್ಶನ ಕೊಟ್ಟು – ನೀನು ಹೆದರಬೇಡ; ಸುಮ್ಮನಿರದೆ ಮಾತಾಡು ಇರು, ೧೦ ನಾನೇ
ನಿನ್ನೊಂದಿಗಿದ್ದೇನೆ; ಯಾರೂ ನಿನ್ನ ಮೇಲೆ ಬಿದ್ದು ಕೇಡು ಮಾಡುವದಿಲ್ಲ; ಈ ಪಟ್ಟಣದಲ್ಲಿ
ನನಗೆ ಬಹಳ ಮಂದಿ ಇದ್ದಾರೆ ಎಂದು ಹೇಳಿದನು. ೧೧ ಅವನು ಒಂದು ವರುಷ ಆರು ತಿಂಗಳು ಅಲ್ಲೇ
ಇದ್ದುಕೊಂಡು ಆ ಜನರಿಗೆ ದೇವ ವಾಕ್ಯವನ್ನು ಉಪದೇಶಮಾಡುತ್ತಿದ್ದನು. ೧೨ ಗಲ್ಲಿಯೋನನು
ಅಖಾಯದ ಅಧಿಪತಿಯಾಗಿರಲು ಯೆಹೂದ್ಯರು ಒಗ್ಗಟ್ಟಾಗಿ ಪೌಲನ ಮೇಲೆ ಬಿದ್ದು ಅವನನ್ನು
ನ್ಯಾಯಾಸ್ಥಾನದ ಮುಂದೆ ಹಿಡಿತಂದು – ೧೩ ಇವನು ದೇವರನ್ನು ಧರ್ಮಶಾಸ್ತ್ರಕ್ಕೆ ವಿರುದ್ಧವಾಗಿ
ಪೂಜಿಸುವದಕ್ಕೆ ಜನರನ್ನು ಒಡಂಬಡಿಸುತಸ್ತಾನೆಂದು ದೂರುಹೇಳಿದರು. ೧೪ ಪೌಲನು ಪ್ರತಿವಾದ
ಮಾಡಬೇಕೆಂದಿದ್ದಾಗ ಗಲ್ಲಿಯೋನನು ಯೆಹೂದ್ಯರಿಗೆ – ಎಲೈ ಯೆಹೂದ್ಯರೇ, ಅನ್ಯಾಯವು
ದುಷ್ಕಾರ್ಯವು ಇಂಥದೇನಾದರೂ ಇದ್ದಪಕ್ಷಕ್ಕೆ ನಾನು ನಿಮ್ಮ ಮಾತನ್ನು ಸಹನದಿಂದ ಕೇಳುವದು
ನ್ಯಾಯವೇ. ೧೫ ಆದರೆ ನೀವು ಮಾಡುವ ವಿವಾದವು ಬೋಧನೆಯನ್ನೂ ಹೆಸರುಗಳನ್ನೂ ನಿಮ್ಮ
ಧರ್ಮಶಾಸ್ತ್ರವನ್ನೂ ಕುರಿತದ್ದಾಗಿರುವದರಿಂದ ಅವುಗಳನ್ನು ನೀವೇ ನೋಡಿಕೊಳ್ಳಿರಿ. ಇಂಥ
ವಿಷಯಗಳನ್ನು ವಿಚಾರಣೆಮಾಡುವದಕ್ಕೆ ನನಗಂತೂ ಮನಸ್ಸಿಲ್ಲ ಎಂದು ಹೇಳಿ ೧೬ ಅವರನ್ನು
ನ್ಯಾಯಾಸ್ಥಾನದ ಎದುರಿನಿಂದ ಹೊರಡಿಸಿಬಿಟ್ಟನು. ೧೭ ಆಗ ಜನರೆಲ್ಲರು ಸಭಾಮಂದಿರದ
ಅಧ್ಯಕ್ಷನಾದ ಸೊಸ್ಥೆನನನ್ನು ಹಿಡಿದುಕೊಂಡು ನ್ಯಾಯಸ್ಥಾನದ ಮುಂದೆಯೇ ಹೊಡೆದರು.
ಗಲ್ಲಿಯೋನನು ಅವುಗಳಲ್ಲಿ ಒಂದನ್ನೂ ಲಕ್ಷ್ಯಕ್ಕೆ ತರಲಿಲ್ಲ. ೧೮ ಪೌಲನು ಇನ್ನು ಅನೇಕ ದಿವಸ
ಅಲ್ಲಿದ್ದ ಮೇಲೆ ಸಹೋದರರಿಂದ ಅಪ್ಪಣೆತೆಗೆದುಕೊಂಡು ತನಗೆ ದೀಕ್ಷೆ ಇದ್ದದರಿಂದ
ಕೆಂಖ್ರೆಯದಲ್ಲಿ ಕ್ಷೌರಮಾಡಿಸಿಕೊಂಡು ಹಡಗನ್ನು ಹತ್ತಿ ಸಿರಿಯಕ್ಕೆ ಹೊರಟನು. ಪ್ರಿಸ್ಕಿಲ್ಲಳೂ
ಅಕ್ವಿಲನೂ ಅವನ ಸಂಗಡ ಹೊರಟರು. ೧೯ ಎಫೆಸಕ್ಕೆ ಬಂದಾಗ ಅವರನ್ನು ಅಲ್ಲೇ ಬಿಟ್ಟನು. ತಾನು
ಸಭಾ ಮಂದಿರದೊಳಕ್ಕೆ ಹೋಗಿ ಯೆಹೂದ್ಯರ ಸಂಗಡ ವಾದಿಸಿದನು. ೨೦ ಅವರು ಅವನನ್ನು
ಇನ್ನು ಕೆಲವು ಕಾಲ ಇರಬೇಕೆಂದು ಕೇಳಿಕೊಂಡಾಗ ಅವನು ಒಪ್ಪದೆ — ೨೧ ದೇವರ ಚಿತ್ತವಾದರೆ
ತಿರಿಗಿ ನಿಮ್ಮ ಬಳಿಗೆ ಬರುತ್ತೇನೆಂದು ಹೇಳಿ ಅವರ ಅಪ್ಪಣೆ ತೆಗೆದುಕೊಂಡು ಹೋದನು. ಆ
ಮೇಲೆ ಎಫಸದಿಂದ ಸಮುದ್ರಪ್ರಯಾಣ ಮಾಡಿ ಕೈಸರೈಯದಲ್ಲಿ ಇಳಿದು. ೨೨ ಯೆರೂಸಲೇಮಿಗೆ
ಹೋಗಿ ಸಭೆಯನ್ನು ವಂದಿಸಿ ಅಂತಿಯೋಕ್ಯಕ್ಕೆ ಬಂದನು.

### ಸುವಾರ್ತೆಯನ್ನು ಸಾರುವದಕ್ಕೆ ಪೌಲನು ಮಾಡಿದ ಮೂರನೆಯ ಪ್ರಯಾಣವನ್ನು ಕುರಿತದ್ದು (೧೮.೨೩-೨೧.೧೭) ಅಪೊಲ್ಲೋಸನನ್ನು ಕುರಿತದ್ದು

೨೩ ಪೌಲನು ಅಂತಿಯೋಕ್ಯದಲ್ಲಿ ಕೆಲವು ಕಾಲ ಇದ್ದು ತಿರಿಗಿ ಹೊರಟು ಕ್ರಮವಾಗಿ ಗಲಾತ್ಯ
ಸೀಮೆಯಲ್ಲಿಯೂ ಫುಗ್ಯದಲ್ಲಿಯೂ ಸಂಚಾರಮಾಡುತ್ತಾ ಶಿಷ್ಯರೆಲ್ಲರನ್ನು ದೃಢಪಡಿಸಿದನು.
೨೪ ಅಷ್ಟರೊಳಗೆ ಅಲೆಕ್ಸಾಂದ್ರಿಯದಲ್ಲಿ ಹುಟ್ಟಿದ ಅಪೊಲ್ಲೋಸನೆಂಬ ಒಬ್ಬ ಯೆಹೂದ್ಯನು
ಎಫೆಸಕ್ಕೆ ಬಂದನು. ಅವನು ವಾಕ್ಚಾತುರ್ಯವುಳ್ಳವನು, ಶಾಸ್ತ್ರಗಳಲ್ಲಿ ಪ್ರವೀಣನು. ೨೫ ಅವನು ಕರ್ತನ
ಮಾರ್ಗದ ವಿಷಯದಲ್ಲಿ ಉಪದೇಶ ಹೊಂದಿದವನಾಗಿದ್ದನು; ಮತ್ತು ಆಸಕ್ತ ಮನಸ್ಸುಳ್ಳವನಾಗಿದ್ದು
ಯೋಹಾನನು ಮಾಡಿಸಿದ ದೀಕ್ಷಾಸ್ನಾನವನ್ನು ಮಾತ್ರ ಬಲ್ಲವನಾದಾಗ್ಯೂ ಯೇಸುವಿನ
ಸಂಗತಿಗಳನ್ನು ಸೂಕ್ಷ್ಮವಾಗಿ ಹೇಳಿ ಉಪದೇಶಿಸಿದನು. ೨೬ ಅವನು ಸಭಾಮಂದಿರದಲ್ಲಿ
ಧೈರ್ಯದಿಂದ ಮಾತಾಡುವದಕ್ಕೆ ಪ್ರಾರಂಭಿಸಿದನು. ಅವನ ಮಾತುಗಳನ್ನು ಪ್ರಿಸ್ಕಲ್ಲಳೂ ಅಕ್ವಿಲನೂ
ಕೇಳಿ ಅವನನ್ನು ತಮ್ಮ ಮನೆಗೆ ಕರೆದುಕೊಂಡು ಹೋಗಿ ದೇವರ ಮಾರ್ಗವನ್ನು ಅವನಿಗೆ
ಇನ್ನೂ ಸೂಕ್ಷ್ಮವಾಗಿ ವಿವರಿಸಿದರು. ೨೭ ಆ ಮೇಲೆ ಅಖಾಯಕ್ಕೆ ಹೋಗಬೇಕೆಂದು ಅವನಿಗೆ

ಮನಸ್ಸಾದಾಗ ಸಹೋದರರು ಅವನನ್ನು ಪ್ರೋತ್ಸಾಹಗೊಳಿಸಿ ಅಲ್ಲಿದ್ದ ಶಿಷ್ಯರಿಗೆ ಇವನನ್ನು
ಸೇರಿಸಿಕೊಳ್ಳಬೇಕೆಂದು ಪತ್ರಿಕೆಯನ್ನು ಬರೆದುಕೊಟ್ಟರು. ೨೮ ಅವನು ಹೋಗಿ ಯೇಸುವೇ
ಕ್ರಿಸ್ತನೆಂದು ಶಾಸ್ತ್ರಾಧಾರದಿಂದ ತೋರಿಸಿಕೊಟ್ಟು ಎಲ್ಲರ ಮುಂದೆ ಬಲವಾಗಿ ಯೆಹೂದ್ಯರನ್ನು
ಖಂಡಿಸಿ ದೇವರ ಕೃಪೆಯಿಂದ ನಂಬಿದ್ದವರಿಗೆ ಬಹಳ ಸಹಾಯಮಾಡಿದನು.

### ಪೌಲನು ಎಫೆಸಕ್ಕೆ ಬಂದು ಯೋಹಾನನ ಶಿಷ್ಯರಿಗೆ ಪವಿತ್ರಾತ್ಮವರದ ವಿಷಯದಲ್ಲಿ ಬೋಧಿಸಿದ್ದು

೧೯ ೧ ಅಪೊಲ್ಲೋಸನು ಕೊರಿಂಥದಲ್ಲಿದ್ದಾಗ ಪೌಲನು ಮಲೆನಾಡಿನಲ್ಲಿ ಸಂಚಾರಮಾಡಿ
ಎಫೆಸಕ್ಕೆ ಬಂದು ಕೆಲವು ಮಂದಿ ಶಿಷ್ಯರನ್ನು ಕಂಡು – ೨ ನೀವು ನಂಬಿದಾಗ
ಪವಿತ್ರಾತ್ಮವರವನ್ನು ಹೊಂದಿದಿರೋ ಎಂದು ಅವರನ್ನು ಕೇಳಲು ಅವರು ಅವನಿಗೆ –
ಇಲ್ಲ, ಪವಿತ್ರಾತ್ಮವರವು ಉಂಟೆಂಬದನ್ನೇ ನಾವು ಕೇಳಲಿಲ್ಲ ಅಂದರು . ೩ ಅವನು – ನೀವು
ಯಾವದನ್ನು ನಂಬಿ ದೀಕ್ಷಾಸ್ನಾನಮಾಡಿಸಿಕೊಂಡಿರಿ ಎಂದು ಕೇಳಿದ್ದಕ್ಕೆ ಅವರು – ಯೋಹಾನನ
ಬೋಧನೆಯನ್ನು ನಂಬಿ ದೀಕ್ಷಾಸ್ನಾನಮಾಡಿಸಿಕೊಂಡೆವು ಅಂದರು. ೪ ಅದಕ್ಕೆ ಪೌಲನು –
ಯೋಹಾನನು ದೇವರ ಕಡೆಗೆ ತಿರುಗಿಕೊಂಡವರಿಗೆ ದೀಕ್ಷಾಸ್ನಾನಮಾಡಿಸಿ ತನ್ನ ಹಿಂದೆ
ಬರುವಾತನಲ್ಲಿ ಅಂದರೆ ಯೇಸುವಿನಲ್ಲಿ ನಂಬಿಕೆಯಿಡಬೇಕೆಂಬದಾಗಿ ಜನರಿಗೆ ಹೇಳಿದನು
ಎಂದು ಹೇಳಲು ೫ ಅವರು ಆ ಮಾತನ್ನು ಕೇಳಿ ಕರ್ತನಾದ ಯೇಸುವಿನ ಹೆಸರಿನಲ್ಲಿ ದೀಕ್ಷಾಸ್ನಾನ
ಮಾಡಿಸಿಕೊಂಡರು. ೬ ಪೌಲನು ಅವರ ಮೇಲೆ ಕೈಗಳನ್ನಿಡಲು ಪವಿತ್ರಾತ್ಮವರವು ಅವರ ಮೇಲೆ
ಬಂತು; ಅವರು ನಾನಾ ಭಾಷೆಗಳನ್ನಾಡಿದರು, ಪ್ರವಾದಿಸಿದರು. ೭ ಅವರು ಸುಮಾರು ಹನ್ನೆರಡು
ಮಂದಿ ಗಂಡಸರು.

### ಪೌಲನು ಎಫೆಸದಲ್ಲಿ ಸುಮಾರು ಮೂರು ವರುಷ ಇದ್ದು ಸುವಾರ್ತೆಯನ್ನು ಪ್ರಕಟಿಸಿ ಅದ್ಭುತಕಾರ್ಯಗಳನ್ನು ನಡಿಸಿದ್ದು; ದೇಮಿತ್ರಿಯನೆಂಬ ಅಕ್ಕಸಾಲಿಗನಿಂದ ಗಲಭೆ ಉಂಟಾದದ್ದು

೮ ಆ ಪಟ್ಟಣದಲ್ಲಿ ಪೌಲನು ಸಭಾಮಂದಿರದೊಳಗೆ ಹೋಗಿ ಮೂರು ತಿಂಗಳು ಅಲ್ಲೇ ದೇವರ
ರಾಜ್ಯದ ವಿಷಯಗಳನ್ನು ಕುರಿತು ವಾದಿಸುತ್ತಾ ಜನರನ್ನು ಒಡಬಡಿಸುತ್ತಾ ಧೈರ್ಯದಿಂದ
ಮಾತಾಡಿದನು. ೯ ಕೆಲವರು ತಮ್ಮ ಮನಸ್ಸುಗಳನ್ನು ಕಠಿಣಮಾಡಿಕೊಂಡು ಒಡಂಬಡದೆ
ಗುಂಪುಕೂಡಿದ ಜನರ ಮುಂದೆ ಈ ಮಾರ್ಗವು ಕೆಟ್ಟದ್ದೆಂದು ಹೇಳಲು ಅವನು ಅವರನ್ನು
ಬಿಟ್ಟುಹೋಗಿ ಶಿಷ್ಯರನ್ನು ಬೇರೆಮಾಡಿ ತುರನ್ನನ ತರ್ಕಶಾಲೆಯಲ್ಲಿ ಪ್ರತಿದಿನವೂ ವಾದಿಸಿದನು.
೧೦ ಇದು ಎರಡು ವರುಷಗಳ ವರೆಗೂ ನಡೆದದ್ದರಿಂದ ಅಸ್ಯಸೀಮೆಯಲ್ಲಿ ವಾಸವಾಗಿದ್ದ
ಯೆಹೂದ್ಯರೂ ಗ್ರೀಕರೂ ಎಲ್ಲರೂ ಕರ್ತನ ವಾಕ್ಯವನ್ನು ಕೇಳಿದರು. ೧೧ ದೇವರು ಪೌಲನ ಕೈಯಿಂದ
ವಿಶೇಷವಾದ ಬಹತ್ಕಾರ್ಯಗಳನ್ನು ನಡಿಸುತ್ತಾ ಇದ್ದದರಿಂದ ೧೨ ಜನರು ಅವನ ಮೈಮೇಲಿನಿಂದ
ಕೈವಸ್ತ್ರಗಳನ್ನೂ ಉಡಿವಸ್ತ್ರಗಳನ್ನೂ ತಂದು ರೋಗಿಗಳ ಮೇಲೆ ಹಾಕಲು ಅವರವರ ರೋಗಗಳು
ವಾಸಿಯಾದವು, ದೆವ್ವಗಳೂ ಬಿಟ್ಟುಹೋದವು. ೧೩ ದೆವ್ವಬಿಡಿಸುವವರೆನಿಸಿಕೊಂಡು
ದೇಶಸಂಚಾರಿಗಳಾದ ಯೆಹೂದ್ಯರಿದ್ದರು. ಅವರಲ್ಲಿ ಕೆಲವರು ದೆವ್ವಹಿಡಿದವರ ಮೇಲೆ
– ಪೌಲನು ಸಾರುವ ಯೇಸುವಿನ ಆಣೆ ಎಂದು ಹೇಳಿ ಕರ್ತನಾದ ಯೇಸುವಿನ ಹೆಸರನ್ನು
ಪ್ರಯೋಗಮಾಡುವದಕ್ಕೆ ತೊಡಗಿದರು. ೧೪ ಮಹಾಯಾಜಕ ಸ್ಕೇವನೆಂಬ ಒಬ್ಬ ಯೆಹೂದ್ಯನ
ಏಳು ಮಂದಿ ಮಕ್ಕಳು ಹಾಗೆ ಮಾಡುತ್ತಿದ್ದರು. ೧೫ ಆದರೆ ದೆವ್ವವು ಅವರಲ್ಲಿ ಇಬ್ಬರಿಗೆ –
ಯೇಸುವಿನ ಗುರುತು ನನಗುಂಟು, ಪೌಲನನ್ನೂ ಬಲ್ಲೆನು, ನೀವಾದರೆ ಯಾರು? ಎಂದು ಹೇಳಿತು;
೧೬ ಮತ್ತು ದೆವ್ವಹಿಡಿದಿದ್ದ ಆ ಮನುಷ್ಯನು ಅವರ ಮೇಲೆ ಹಾರಿ ಬಿದ್ದು ಅವರಿಬ್ಬರನ್ನೂ
ಸೋಲಿಸಿ ಬಲಾತ್ಕರಿಸಿದ್ದರಿಂದ ಅವರು ಬೆತ್ತಲೆಯಾಗಿಯೂ ಗಾಯವುಳ್ಳವರಾಗಿಯೂ ಆ
ಮನೆಯೊಳಗಿಂದ ಓಡಿಹೋದರು. ೧೭ ಈ ಸಂಗತಿಯು ಎಫೆಸದಲ್ಲಿ ವಾಸವಾಗಿದ್ದ ಎಲ್ಲಾ
ಯೆಹೂದ್ಯರಿಗೂ ಗ್ರೀಕರಿಗೂ ತಿಳಿದುಬಂದಾಗ ಅವರೆಲ್ಲರಿಗೆ ಭಯಹಿಡಿಯಿತು. ೧೮ ಮತ್ತು
ಕರ್ತನಾದ ಯೇಸುವಿನ ಹೆಸರು ಪ್ರಖ್ಯಾತಿಗೆ ಬಂತು. ಆತನನ್ನು ನಂಬಿದವರಲ್ಲಿ ಅನೇಕರು ಬಂದು
ತಮ್ಮ ಕೃತ್ಯಗಳನ್ನು ಒಪ್ಪಿಕೊಂಡು ತಿಳಿಸಿದರು. ೧೯ ಇದಲ್ಲದೆ ಮಾಟ ಮಂತ್ರಗಳನ್ನು ನಡಿಸಿದವರಲ್ಲಿ
ಅನೇಕರು ತಮ್ಮ ಪುಸ್ತಕಗಳನ್ನು ತಂದು ಕೂಡಿಸಿ ಎಲ್ಲರ ಮುಂದೆ ಸುಟ್ಟುಬಿಟ್ಟರು. ಅವುಗಳ
ಕ್ರಯವನ್ನು ಲೆಕ್ಕಮಾಡಿ ಐವತ್ತು ಸಾವಿರ ಬೆಳ್ಳೀ ನಾಣ್ಯ ಆಯಿತೆಂದು ತಿಳಿದುಕೊಂಡರು. ೨೦ ಈ
ರೀತಿಯಾಗಿ ಕರ್ತನ ವಾಕ್ಯವು ಬಹಳವಾಗಿ ಹೆಚ್ಚುತ್ತಾ ಪ್ರಬಲವಾಯಿತು. ೨೧ ಈ ಸಂಗತಿಗಳು
ಆದ ಮೇಲೆ ಪೌಲನು ತಾನು ಮಕೆದೋನ್ಯದಲ್ಲಿಯೂ ಅಖಾಯದಲ್ಲಿಯೂ ಸಂಚಾರಮಾಡಿ

ಯೆರೂಸಲೇಮಿಗೆ ಹೋಗಬೇಕೆಂದು ಮನಸ್ಸಿನಲ್ಲಿ ಉದ್ದೇಶಿಸಿ ಅಲ್ಲಿಗೆ ಹೋದ
ಮೇಲೆ ರೋಮಾಪುರವನ್ನು ಸಹ ನೋಡಬೇಕೆಂದು ಹೇಳಿದನು. ೨೨ ಆದರೆ ಅವನು ತನಗೆ
ಸೇವೆಮಾಡುವವರಲ್ಲಿ ಇಬ್ಬರಾದ ತಿಮೊಥೆಯನನ್ನೂ ಎರಸ್ತನನ್ನೂ ಮಕೆದೋನ್ಯಕ್ಕೆ ಕಳುಹಿಸಿ
ತಾನು ಆಸ್ಯಸೀಮೆಯಲ್ಲಿ ಕೆಲವು ಕಾಲ ನಿಂತನು.
೨೩ ಆ ಕಾಲದಲ್ಲಿ ಕ್ರಿಸ್ತ ಮಾರ್ಗದ ವಿಷಯವಾಗಿ ಬಹಳ ಗಲಭೆ ಹುಟ್ಟಿತು. ೨೪ ಹೇಗಂದರೆ
ದೇಮೇತ್ರಿಯನೆಂಬ ಒಬ್ಬ ಅಕ್ಕಸಾಲಿಗನು ಬೆಳ್ಳಿಯಿಂದ ಅರ್ತೆಮೀ ದೇವಿಯ ಗುಡಿಯಂತೆ
ಸಣ್ಣಸಣ್ಣ ಗುಡಿಗಳನ್ನು ಮಾಡಿ ಸುವವನಾಗಿದ್ದು ಆ ಕಸಬೆನವರಿಗೆ ಬಹಳ ಕೆಲಸ ಕೊಡುತ್ತಿದ್ದನು.
೨೫ ಅವನು ಅವರನ್ನೂ ಆ ಕಸಬಿನ ಸಂಬಂಧವಾದ ಕೆಲಸದವರನ್ನೂ ಒಟ್ಟಿಎ ಕರಸಿ ಅವರಿಗೆ
— ಜನರೇ, ಈ ಕೆಲಸದಿಂದ ನಮಗೆ ಐಶ್ವರ್ಯ ಉಂಟಾಗುತ್ತದೆಂದು ನೀವು ಬಲ್ಲಿರಿ.
೨೬ ಆದರೆ ಕೈಯಿಂದ ಮಾಡಿದ ಮೂರ್ತಿಗಳು ದೇವರುಗಳಲ್ಲವೆಂದು ಆ ಪೌಲನು ಹೇಳಿ
ಎಫೆಸದಲ್ಲಿ ಮಾತ್ರವಲ್ಲದೆ ಸ್ವಲ್ಪ ಕಡಿಮೆ ಆಸ್ಯಸೀಮೆಯಲ್ಲೆಲ್ಲಾ ಬಹಳ ಜನರನ್ನು ಒಡಂಬಡಿಸಿ
ತಿರುಗಿಸಿಬಿಟ್ಟಿದ್ದಾನೆ ಎಂಬದನ್ನು ನೀವು ನೋಡುತ್ತೀರಿ, ಕೇಳುತ್ತೀರಿ. ೨೭ ಇದರಿಂದ ನಮ್ಮ
ಉದ್ಯೋಗಕ್ಕೆ ಅಪಕೀರ್ತಿ ಬರುವ ಹಾಗಿರುವದಲ್ಲದೆ ಅರ್ತೆಮೀ ಮಹಾದೇವಿಯ ದೇವಸ್ಥಾನವು
ಗಣನೆಗೆ ಬಾರದೆಹೋಗುವ ಹಾಗೆಯೂ ಎಲ್ಲಾ ಆಸ್ಯಸೀಮೆಯೂ ಲೋಕವೂ ಪೂಜಿಸುವ ಈ
ದೇವಿಯ ವೈಭವಕ್ಕೆ ಹಾಸಿಬರುವ ಹಾಗೆಯೂ ಗಂಡಾಂತರವುಂಟೆಂದು ಹೇಳಿದನು. ೨೮ ಅವರು
ಈ ಮಾತುಗಳನ್ನು ಕೇಳಿ ಕೋಪಾಕ್ರಾಂತರಾಗಿ — ಎಫೆಸದವರ ಅರ್ತೆಮೀದೇವಿ ಮಹಾದೇವಿ
ಎಂದು ಅರ್ಭಟಿಸಿದರು. ೨೯ ಆಗ ಊರೆಲ್ಲಾ ಗಲಿಬಿಲಿಯಾಯಿತು. ಪ್ರಯಾಣದಲ್ಲಿ ಪೌಲನಿಗೆ
ಜೊತೆಯವರಾಗಿದ್ದ ಮಕೆದೋನ್ಯದ ಗಾಯನನ್ನೂ ಅರಿಸ್ತಾರ್ಕನನ್ನೂ ಜನರು ಹಿಡಿದುಕೊಂಡು
ಒಗ್ಗಟ್ಟಾಗಿ ನಾಟಕ ಶಾಲೆಯೊಳಗೆ ನುಗ್ಗಿದರು. ೩೦ ಪೌಲನು ಜನರೊಳಗೆ ಹೋಗಬೇಕೆಂದಿದ್ದಾಗ
ಶಿಷ್ಯರು ಅವನನ್ನು ಬಿಡಲಿಲ್ಲ. ೩೧ ಇದಲ್ಲದೆ ಆಸ್ಯಸೀಮೆಯ ಅಧಿಕಾರಿಗಳಲ್ಲಿ ಕೆಲವರು ಅವನಿಗೆ
ಸ್ನೇಹಿತರಾಗಿದ್ದದರಿಂದ ಅವನ ಬಳಿಗೆ ಜನರನ್ನು ಕಳುಹಿಸಿ — ನೀನು ನಾಟಕಶಾಲೆಯೊಳಗೆ
ಹೋಗಿ ನಿನ್ನನ್ನು ಅಪಾಯಕ್ಕೆ ಗುರಿಮಾಡಿಕೊಳ್ಳಬೇಡ ಎಂದು ಬೇಡಿಕೊಂಡರು. ೩೨ ಸಭೆಯ
ಗಲಿಬಿಲಿಯಾಯಿತು, ಮತ್ತು ಹೆಚ್ಚಾದ ಜನರಿಗೆ ತಾವು ಕೂಡಿ ಬಂದಿದ್ದ ಕಾರಣವು ಗೊತ್ತಿರಲಿಲ್ಲ.
ಕೆಲವರು ಒಂದು ಬರೆಯಾಗಿ ಮತ್ತೆ ಕೆಲವರು ಇನ್ನೊಂದು ಬಗೆಯಾಗಿ ಕೂಗುತ್ತಿದ್ದರು.
೩೩ ಯೆಹೂದ್ಯರು ಅಲೆಕ್ಸಾಂದ್ರನನ್ನು ಮುಂದಕ್ಕೆ ನೂಕಲು ಗುಂಪಿನಲ್ಲಿ ಕೆಲವರು ಅವನಿಗೆ
ಸೂಚನೆ ಕೊಟ್ಟರು. ಆಗ ಅಲೆಕ್ಸಾಂದ್ರನು ಕೈಸನ್ನೆ ಮಾಡಿ ಕೂಡಿದ್ದ ಜನರಿಗೆ ಪ್ರತಿವಾದ
ಮಾಡಬೇಕೆಂದಿದ್ದನು. ೩೪ ಆದರೆ ಅವನು ಯೆಹೂದ್ಯನೆಂದು ತಿಳಿದಾಗ ಎಲ್ಲರೂ ಒಂದೇ
ಶಬ್ದದಿಂದ — ಎಫೆಸದವರ ಅರ್ತೆಮೀದೇವಿ ಮಹಾದೇವಿ ಎಂದು ಎರಡು ಘಂಟೆ ಹೊತ್ತು
ಕೂಗಿದರು. ೩೫ ಕಡೆಗೆ ಪಟ್ಟಣದ ಯಜಮಾನನು ಜನರ ಗುಂಪನ್ನು ಸಮಾಧಾನಪಡಿಸಿ —
ಎಫೆಸದವರೇ, ಎಫೆಸ ಪಟ್ಟಣದವರು ಅರ್ತೆಮೀ ಮಹಾದೇವಿಯ ದೇವಸ್ಥಾನಕ್ಕೂ ಆಕಾಶದಿಂದ
ತಿಳಿಯದಿರುವ ಮನುಷ್ಯನು ಇದ್ದಾನೇ? ೩೬ ಈ ಸಂಗತಿ ಅಲ್ಲವೆನ್ನುವದಕ್ಕೆ ಯಾರಿಂದಲೂ
ಆಗದಿರುವದರಿಂದ ನೀವು ಶಾಂತಿಯಿಂದರಬೇಕು; ದುಡುಕಿನಿಂದ ಏನೂ ಮಾಡಬಾರದು
೩೭ ನೀವು ತಂದಿರುವ ಈ ಮನುಷ್ಯರು ದೇವಸ್ಥಾನದಲ್ಲಿ ಕಳ್ಳತನ ಮಾಡುವವರಲ್ಲ, ನಮ್ಮ
ದೇವಿಯನ್ನು ದೂಷಿಸುವವರೂ ಅಲ್ಲ. ೩೮ ಹೀಗಿರುವದರಿಂದ ದೇಮೇತ್ರಿಯಸಿಗೂ ಅವನ
ಪಕ್ಷವನ್ನು ಹಿಡಿದಿರುವ ಕಸಬಿನವರಿಗೂ ಯಾವನ ಮೇಲಾದರೂ ಒಂದು ವ್ಯವಹಾರವಿದ್ದರೆ
ನ್ಯಾಯಸ್ಥಾನಗಳುಂಟು, ಅಧಿಪತಿಗಳಿದ್ದಾರೆ, ಒಬ್ಬರಮೇಲೊಬ್ಬರು ವ್ಯಾಜ್ಯವಾಡಿಕೊಳ್ಳಲಿ.
೩೯ ಏನಾದರೂ ಹೆಚ್ಚು ವಿಚಾರಣೆ ಬೇಕಾದರೆ ಅದು ನ್ಯಾಯವಾಗಿ ನೆರೆದ ಸಭೆಯಲ್ಕಲಿ
ತೀರ್ಮಾನಿಸಲ್ಪಡಬೇಕು. ೪೦ ಈ ದಿನದಲ್ಲಿ ನ್ಯಾಯವಾದ ಕಾರಣವಿಲ್ಲದೆ ನೆರೆದ ಕೂಟದ
ವಿಷಯದಲ್ಲಿ ಇದು ಒಂದು ದಂಗೆ ಎಂಬದಾಗಿ ನಮ್ಮ ಮೇಲೆ ತಪ್ಪುಹೊರಿಸುವದಕ್ಕೆ
ಆಸ್ಪದವಾಯಿತು. ಈ ದೊಂಬಿಯನ್ನು ಕುರಿತು ವಿಚರಣೆನಡೆದರೆ ನಮ್ಮಿಂದ ಉತ್ತರಕೊಡುವದಕ್ಕೆ
ಆಗುವದೇ ಇಲ್ಲ ಎಂದು ಹೇಳಿದನು. ೪೧ ಈ ಮಾತುಗಳನ್ನು ಹೇಳಿ ಸಭೆಯನ್ನು ಮುರಿದನು.

ಪೌಲನು ಮಕೆದೋನ್ಯಕ್ಕೂ ಗ್ರೀಸ್‌ದೇಶಕ್ಕೂ ಹೋದ ಮೇಲೆ ತ್ರೋವಕ್ಕೆ ಬಂದದ್ದು; ಅಲ್ಲಿ ನಡೆದ
ಯೂತಿಖನ ಸಂಗತಿಯು ೧ ಗದ್ದಲವು ನಿಂತ ತರುವಾಯ ಪೌಲನು ಶಿಷ್ಯರನ್ನು ಕೂಡ ಕರೆಸಿ
ಧೈರ್ಯಗೊಳಿಸಿ ಅವರ ಅಪ್ಪಣೆ ತೆಗೆದುಕೊಂಡು ಮಕೆದೋನ್ಯಕ್ಕೆ ಹೊರಟನು. ೨ ಆ
ಸೀಮೆಯಲ್ಲಿ ಸಂಚಾರಮಾಡಿ ಅಲ್ಲಿಯವರನ್ನು ಅನೇಕ ಮಾತುಗಳಿಂದ ಧೈರ್ಯಪಡಿಸಿ ಗ್ರೀಸ್
ದೇಶಕ್ಕೆ ಬಂದನು. ೩ ಅಲ್ಲಿ ಮೂರು ತಿಂಗಳು ಕಳೆದ ಮೇಲೆ ಸಿರಿಯ ದೇಶಕ್ಕೆ
ಸಮುದ್ರಮಾರ್ಗವಾಗಿ ಹೋಗಬೇಕೆಂದಿದ್ದಾಗ ಅವನಿಗೆ ವಿರುದ್ಧವಾಗಿ ಯೆಹೂದ್ಯರಲ್ಲಿ
ಒಳಸಂಚು ಹುಟ್ಟಿದ್ದರಿಂದ ಅವನು ಮಕೆದೋನ್ಯದ ಮೇಲೆ ಹಿಂತಿರುಗಿ ಹೋಗುವದಕ್ಕೆ
ತೀರ್ಮಾನ ಮಾಡಿದನು. ೪ ಪುರ್‍ರನ ಮಗನಾದ ಬೆರೋಯಪಟ್ಟಣದ ಸೋಪತ್ರನೂ
ಥೆಸಲೋನೀಕದವರಲ್ಲಿ ಅರಿಸ್ತಾರ್ಕನೂ ಸೆಕುಂದನೂ ದೆರ್ಬೆಪಟ್ಟಣದ ಗಾಯನೂ
ತಿಮೊಥೆಯನೂ ಆಸ್ಯಸೀಮೆಯವರಲ್ಲಿ ತುಖಿಕನೂ ತ್ರೊಫಿಮನೂ ಆಸ್ಯಸೀಮೆಯ ವರೆಗೆ
ಅವನ ಜೊತೆಯಲ್ಲಿ ಹೋದರು. ೫ ಇವರು ಇವರು ಮುಂಚಿತವಾಗಿ ಹೋಗಿ ನಮಗೋಸ್ಕರ
ತ್ರೋವದಲ್ಲಿ ಕಾದುಕೊಂಡರು. ೬ ಹುಳಿಯಿಲ್ಲದ ರೊಟ್ಟಿಯ ಹಬ್ಬದ ದಿವಸಗಳನ್ನು ಪೂರೈಸಿದ
ಮೇಲೆ ನಾವು ಫಿಲಿಪ್ಪಿಯಿಂದ ಹೊರಟು ಹಡಗನ್ನು ಹತ್ತಿ ಐದು ದಿವಸದಲ್ಲಿ
ತ್ರೋವದಲ್ಲಿ ಬಂದು ಅವರನ್ನು ಸೇರಿದೆವು. ಅಲ್ಲಿ ಏಳು ದಿವಸಗಳಿದ್ದೆವು.

೨೦ ೭ ವಾರದ ಮೊದಲನೆಯ ದಿವಸದಲ್ಲಿ ನಾವು ರೊಟ್ಟಿ ಮುರಿಯುವ ನಿಯಮಕ್ಕಾಗಿ
ಕೂಡಿಬಂದಾಗ ಮರುದಿನ ಹೊರಡಬೇಕೆಂದಿದ್ದ ಪೌಲನು ಅವರಿಗೆ ಪ್ರಸಂಗಿಸುತ್ತಾ
ಸರಿಹೊತ್ತಿನ ವರೆಗೂ ಉಪನ್ಯಾಸವನ್ನು ನಡಿಸಿದನು. ೮ ನಾವು ಕೂಡಿದ್ದ ಮೇಲಂತಸ್ತಿನಲ್ಲಿ
ಅನೇಕ ದೀಪಗಳಿದ್ದವು. ೯ ಯೂತಿಖನೆಂಬ ಒಬ್ಬ ಯೌವನಸ್ಥನು ಕಿಟಿಕಿಯಲ್ಲಿ ಕೂತುಕೊಂಡು
ಗಾಢನಿದ್ರೆಯಿಂದ ತೂಕಡಿಸಿದನು. ಪೌಲನು ಇನ್ನೂ ಪ್ರಸಂಗ ಮಾಡುತ್ತಾ ಇದ್ದಾಗ ಆ ಯೌವನಸ್ಥನು
ನಿದ್ರೆಯಿಂದ ತೂಕಡಿಕೆ ಹೆಚ್ಚಾಗಿ ಮೂರನೆಯ ಅಂತಸ್ತಿನಿಂದ ಕೆಳಕ್ಕೆ ಬಿದ್ದನು; ಅವನನ್ನು
ಎತ್ತಿನೋಡುವಾಗ ಸತ್ತಿದ್ದನು. ೧೦ ಆದರೆ ಪೌಲನು ಇಳಿದುಹೋಗಿ ಅವನ ಮೇಲೆ ಬಿದ್ದು
ತಬ್ಬಿಕೊಂಡು — ಗೋಳಾಡಬೇಡಿರಿ, ಅವನ ಪ್ರಾಣ ಅವನಲ್ಲಿ ಅದೆ ಎಂದು ಹೇಳಿದನು. ೧೧ ಆಗ
ಅವನು ಮೇಲಕ್ಕೆ ಹೋಗಿ ರೊಟ್ಟಿ ಮುರಿದು ಊಟಮಾಡಿ ಬಹಳ ಹೊತ್ತು ಬೆಳಗಾಗುವ
ತನಕ ಸಲ್ಲಾಪಮಾಡಿ ಹಾಗೆ ಹೊರಟುಹೋದನು. ೧೨ ಅವರು ಜೀವಿತನಾದ ಆ ಹುಡುಗನನ್ನು
ಕರೆದುಕೊಂಡು ಬರಲು ಅವರಿಗೆ ಬಹಳ ಆದರಣೆ ಉಂಟಾಯಿತು.

### ಪೌಲನು ಎಫೆಸ ಪಟ್ಟಣದ ಸಭೇಹಿರಿಯರನ್ನು ಮಿಲೇತಕ್ಕೆ ಕರಿಸಿ ಅಪ್ಪಣೆತೆಗೆದು ಕೊಳ್ಳುನಲ್ಲಿ ಪ್ರಸಂಗಮಾಡಿದ್ದು

೧೩ ನಾವು ಮೊದಲು ಹೋಗಿ ಅಸ್ಸೊಸಿನಲ್ಲಿ ಪೌಲನನ್ನು ಹತ್ತಿಸಿಕೊಳ್ಳಬೇಕೆಂದು ಅಲ್ಲಿಗೆ
ಸಮುದ್ರಪ್ರಯಾಣಮಾಡಿದೆವು. ಪೌಲನು ತಾನು ಕಾಲುನಡೆಯಾಗಿ ಹೋಗಬೇಕೆಂದು ಹಾಗೆಯೇ
ನಮಗೆ ಅಪ್ಪಣೆ ಮಾಡಿದ್ದನು. ೧೪ ಅಸ್ಸೊಸಿನಲ್ಲಿ ಅವನು ನಮ್ಮನ್ನು ಕೂಡಿಕೊಂಡಾಗ ನಾವು
ಅವನನ್ನು ಹತ್ತಿಸಿಕೊಂಡು ಮಿತಿಲೇನೆಗೆ ಬಂದೆವು. ೧೫ ಅಲ್ಲಿಂದ ಹೊರಟು ಮರುದಿನ
ಖೀಯಕೊಸ್‌ದ್ವೀಪಕ್ಕೆದುರಾಗಿ ಬಂದು ಅದರ ಮರುದಿನ ಸಾಮೊಸಿನ ಹತ್ತರ ಬಂದೆವು. ಅದರ
ಮರುದಿನ ಮಿಲೇತಕ್ಕೆ ಸೇರಿದೆವು. ೧೬ ಪೌಲನು ತನಗೆ ಸಾಧ್ಯವಾದರೆ ಪಂಚಾಶತ್ತಮ ದಿವಸದ
ಹಬ್ಬಕ್ಕೆ ಯೆರೂಸಲೇಮಿನಲ್ಲಿರಬೇಕೆಂದು ಅವರಪಡುತ್ತಾ ಇದ್ದದರಿಂದ ಆಸ್ಯಸೀಮೆಯಲ್ಲಿ
ಕಾಲವನ್ನು ಕಳೆಯುವದಕ್ಕೆ ಮನಸ್ಸಿಲ್ಲದೆ ಎಫೆಸಪಟ್ಟಣವನ್ನು ದಾಟಿಹೋಗಬೇಕೆಂದು
ತೀರ್ಮಾನಿಸಿಕೊಂಡಿದ್ದನು.

೧೭ ಅವನು ಮಿಲೇತದಿಂದ ಎಫೆಸಕ್ಕೆ ಹೇಳಿಕಳುಹಿಸಿ ಅಲ್ಲಿಯ ಸಭೆಯ ಹಿರಿಯರನ್ನು
ಕರಿಸಿದನು. ೧೮ ಅವರು ಅವನ ಬಳಿಗೆ ಬಂದಾಗ ಅವರಿಗೆ ಅವನು ಹೇಳಿದ್ದೇನಂದರೆ
— /ನಾನು ಆಸ್ಯಸೀಮೆಯಲ್ಲಿ ಕಾಲಿಟ್ಟ ಮೊದಲನೆಯ ದಿವಸದಿಂದ ನಿಮ್ಮ ಮಧ್ಯೆ
ಎಲ್ಲಾ ಕಾಲದಲ್ಲಿಯೂ ಹೇಗೆ ನಡಕೊಂಡೆನೆಂಬನ್ನು ನೀವೇ ಬಲ್ಲಿರಿ. ೧೯ ನಾನು ಬಹು
ನಮ್ರತೆಯಿಂದಲೂ ಕಣ್ಣೀರಿನಿಂದಲೂ ಕರ್ತನ ಸೇವೆ ಮಾಡುತ್ತಿದ್ದೆನೆ. ಇದರಲ್ಲಿ
ಯೆಹೂದ್ಯರ ಒಳಸಂಚುಗಳಿಂದ ಸಂಭವಿಸಿದ ಕಷ್ಟಗಳನ್ನು ಸಹಿಸುತ್ತಿದ್ದೆನು. ೨೦ ನಾನು
ನಿಮಗೆ ಹಿತಕರವಾದದ್ದೆಲ್ಲವನ್ನು ಹೇಳುವದಕ್ಕೂ ಸಭೆಯಲ್ಲಿಯೂ ಮನೆಮನೆಯಲ್ಲಿಯೂ
ಉಪದೇಶಿಸುವದಕ್ಕೂ ಹಿಂತೆಗೆಯದೆ ೨೧ ಯೆಹೂದ್ಯರಿಗೂ ಗ್ರೀಕರಿಗೂ ದೇವರ ಕಡೆಗೆ

ತಿರುಗಬೇಕೆಂತಲೂ ನಮ್ಮ ಕರ್ತನಾದ ಯೇಸುವಿನ ಮೇಲೆ ನಂಬಿಕೆಯಿಡಬೇಕೆಂತಲೂ
ಖಂಡಿತವಾಗಿ ಬೋಧಿಸುವವನಾಗಿದ್ದೆನು; ಇದೆಲ್ಲಾ ನಿಮಗೇ ತಿಳಿದಿದೆ. ೨೨ ಇಗೋ, ನಾನು
ಈಗ ಆತ್ಮನಿರ್ಬಂಧವುಳ್ಳವನಾಗಿ ಯೆರೂಸಲೇಮಿಗೆ ಹೋಗುತ್ತೇನೆ. ಅಲ್ಲಿ ನನಗೆ ಏನು
ಸಂಭವಿಸುವದೋ ನಾನರಿಯೆ. ೨೩ ನಿನಗೆ ಬೇಡಿಗಳೂ ಸಂಕಟಗಳೂ ಕಾದುಕೊಂಡವೆ ಎಂದು
ಪವಿತ್ರಾತ್ಮನು ಎಲ್ಲಾ ಪಟ್ಟಣಗಳಲ್ಲಿಯೂ ನನಗೆ ಖಂಡಿತವಾಗಿ ಹೇಳುತ್ತಾನೆ; ಇಷ್ಟುಮಾತ್ರ ಬಲ್ಲೆನು.
೨೪ ಆದರೆ ಪ್ರಾಣವನ್ನು ಉಳಿಸಿಕೊಳ್ಳುವದೇ ವಿಶೇಷವೆಂದು ನಾನು ಎಣಿಸುವದಿಲ್ಲ. ದೇವರ
ಕೃಪೆಯ ವಿಷಯವಾದ ಸುವಾರ್ತೆಯನ್ನು ಆಸಕ್ತಿಯಿಂದ ಪ್ರಕಟಿಸಬೇಕೆಂಬದಾಗಿ ಕರ್ತನಾದ
ಯೇಸುವಿನಿಂದ ನಾನು ಹೊಂದಿರುವ ಸೇವೆಯೆಂಬ ಓಟವನ್ನು ಕಡೆಗಾಣಿಸುವದೊಂದೇ ನನ್ನ
ಅಪೇಕ್ಷೆ. ೨೫ ಇಗೋ, ಇಷ್ಟು ದಿವಸ ನಿಮ್ಮಲ್ಲಿ ಸಂಚಾರಮಾಡಿ ದೇವರ ರಾಜ್ಯವನ್ನು ಸಾರಿದವನಾದ
ನನ್ನ ಮುಖವನ್ನು ಇನ್ನು ಮೇಲೆ ನಿಮ್ಮಲ್ಲಿ ಒಬ್ಬರೂ ಕಾಣುವದಿಲ್ಲವೆಂದು ಬಲ್ಲೆನು. ೨೬ ಆದಕಾರಣ
ನಾನು ಈಹೊತ್ತು ಪ್ರಮಾಣವಾಗಿ ಹೇಳುತ್ತೇನೆ, ನಿಮ್ಮಲ್ಲಿ ಯಾರಾದರೂ ನಾಶವಾದರೆ ಅದು
ನನ್ನ ದೋಷವಲ್ಲ. ೨೭ ಯಾಕಂದರೆ ಒಂದನ್ನೂ ಮರೆಮಾಡದೆ ದೇವರ ಸಂಕಲ್ಪವನ್ನೆಲ್ಲಾ ನಿಮಗೆ
ತಿಳಿಸಿದೆನು. ೨೮ ದೇವರು ಸ್ವರಕ್ತದಿಂದ ಸಂಪಾದಿಸಿಕೊಂಡ ಸಭೆಯನ್ನು ಪರಿಪಾಲಿಸುವದಕ್ಕಾಗಿ
ಪವಿತ್ರಾತ್ಮನು ನಿಮ್ಮನ್ನೇ ಆ ಹಿಂಡಿನಲ್ಲಿ ಅಧ್ಯಕ್ಷರಾಗಿ ಇಟ್ಟಿರುವದರಿಂದ ನಿಮ್ಮ ವಿಷಯದಲ್ಲಿಯೂ
ಎಲ್ಲಾ ಹಿಂಡಿನ ವಿಷಯದಲ್ಲಿಯೂ ಎಚ್ಚರಿಕೆಯಾಗಿರಿ. ೨೯ ನಾನು ಹೋದ ಮೇಲೆ ಕ್ರೂರವಾದ
ತೋಳಗಳು ನಿಮಷ್ಮೊಳಗೆ ಬರುವವೆಂದು ನಾನು ಬಲ್ಲೆನು; ಅವು ಹಿಂಡನ್ನು ಕನಿಕರಿಸುವದಿಲ್ಲ.
೩೦ ಇದಲ್ಲದೆ ನಿಮ್ಮಲ್ಲಿಯೂ ಕೆಲವರು ಎದ್ದು ವ್ಯತ್ಯಾಸ ಬೋಧನೆಗಳನ್ನು ಮಾಡಿ ಯೇಸುವಿನ
ಶಿಷ್ಯರನ್ನು ತಮ್ಮ ಹಿಂದೆ ಎಳಕೊಳ್ಳುವರು. ೩೧ ಆದಕಾರಣ ನಾನು ಕಣ್ಣೀರುಸುರಿಸುತ್ತಾ
ಮೂರು ವರುಷ ಹಗಲಿರುಳು ಎಡೆಬಿಡದೆ ಪ್ರತಿಯೊಬ್ಬನಿಗೆ ಬುದ್ಧಿಹೇಳಿದೆನೆಂದು
ನೀವು ಜ್ಞಾಪಕಮಾಡಿಕೊಂಡು ಎಚ್ಚರವಾಗಿರಿ. ೩೨ ನಾನೀಗ ನಿಮ್ಮನ್ನು ಕರ್ತನಿಗೂ ಆತನ
ಕೃಪಾವಾಕ್ಯಕ್ಕೂ ಒಪ್ಪಿಸಿಕೊಡುತ್ತೇನೆ. ಆತನು ನಿಮ್ಮಲ್ಲಿ ಭಕ್ತಿವೃದ್ಧಿಯನ್ನುಂಟುಮಾಡುವದಕ್ಕೂ
ಪವಿತ್ರರಾದವರೆಲ್ಲರಲ್ಲಿ ನಿಮಗೆ ಹಕ್ಕನ್ನು ಅನುಗ್ರಹಿಸುವದಕ್ಕೂ ಶಕ್ತನಾಗಿದ್ದಾನೆ. ೩೩ ನಾನು
ಯಾರ ಬೆಳ್ಳಿಭಂಗಾರವನ್ನಾಗಲಿ ಉಡಿಗೆತೊಡಿಗೆಯನ್ನಾಗಲಿ ಬಯಸಲಿಲ್ಲ. ೩೪ ಈ ಕೈಗಳೇ
ಕೆಲಸಮಾಡಿ ನನ್ನ ಕೊರತೆಗಳನ್ನೂ ನನ್ನ ಜೊತೆಯಲ್ಲಿದ್ದವರ ಕೊರತೆಗಳನ್ನು ನೀಗಿದ್ದನ್ನು ನೀವೇ
ಬಲ್ಲಿರಿ. ೩೫ ವಿಷಯಗಳಲ್ಲಿ ನಾನು ನಿಮಗೆ ಮಾದರಿ ತೋರಿಸಿದ್ದೇನೆ. ನೀವು ಹಾಗೆಯೇ
ದುಡಿದು ಬಲವಿಲ್ಲದವರಿಗೆ ಉಪಕಾರಮಾಡಬೇಕು; ಮತ್ತು — ತೆಗೆದುಕೊಳ್ಳುವದಕ್ಕಿಂತ
ಕೊಡುವದೇ ಹೆಚ್ಚಿನ ಭಾಗ್ಯವೆಂಬದಾಗಿ ಕರ್ತನಾದ ಯೇಸು ತಾನೇ ಹೇಳಿದ ಮಾತುಗಳನ್ನು
ನೆನಪಿನಲ್ಲಿಟ್ಟುಕೊಂಡಿರಬೇಕು ಅಂದನು.

೩೬ ಈ ಮಾತುಗಳನ್ನು ಅವನು ಹೇಳಿದ ಮೇಲೆ ಮೊಣಕಾಲೂರಿಕೊಂಡು ಅವರೆಲ್ಲರ ಸಂಗಡ
ಪ್ರಾರ್ಥನೆಮಾಡಿದನು. ೩೭ - ೩೮ ಆಗ ಅವರೆಲ್ಲರು ಬಹಳವಾಗಿ ಅತ್ತರು. ನೀವು ಇನ್ನು ಮೇಲೆ ನನ್ನ
ಮುಖವನ್ನು ಕಾಣುವದಿಲ್ಲವೆಂದು ಪೌಲನು ಹೇಳಿದ ಮಾತಿಗೆ ಅವರು ವಿಶೇಷವಾಗಿ ವ್ಯಥೆಪಟ್ಟು
ಅವನ ಕೊರಳನ್ನು ತಬ್ಬಿಕೊಂಡು ಅವನಿಗೆ ಮುದ್ದಿಟ್ಟರು. ಆ ಮೇಲೆ ಅವರು ಅವನನ್ನು ಹಡಗಿಗೆ
ಸಾಗಕಳುಹಿಸಿದರು.

ಪೌಲನು ಮಿಲೇತದಿಂದ ಯೆರೂಸಲೇಮಿಗೆ ಮಾಡಿದ ಪ್ರಯಾಣದಲ್ಲಿ ನಡೆದ ವೃತ್ತಾಂತ ೧ ನಾವು
ಪ್ರಯಾಸದಿಂದ ಅವರನ್ನು ಬಿಟ್ಟು ಹಡಗನ್ನು ಹತ್ತಿದ ಮೇಲೆ ನೆಟ್ಟಗೆ ಹೋಗಿ ಕೋಸ್‌ದ್ವೀಪಕ್ಕೆ
ಸೇರಿದೆವು. ಮರುದಿನ ರೋದಕ್ಕೆ ಹೋಗಿ ಅಲ್ಲಿಂದ ಪತರಕ್ಕೆ ಬಂದೆವು. ೨ ಅಲ್ಲಿ
ಫೊಯಿನೀಕೆಗೆ ಹೋಗುವ ಹಡಗನ್ನು ಕಂಡು ಹತ್ತಿ ಪ್ರಯಾಣವನ್ನು ಸಾಗಿಸಿದೆವು. ೩ ಮುಂದೆ
ಕುಪ್ರದ್ವೀಪವನ್ನು ಕಂಡು ಅದನ್ನು ಎಡಗಡೆಗೆ ಬಿಟ್ಟು ಸಿರಿಯದೇಶದ ಕಡೆಗೆ ಸಾಗಿ
ತೂರ್‌ಪಟ್ಟಣಕ್ಕೆ ಬಂದು ಇಳಿದೆವು. ಯಾಕಂದರೆ ಅಲ್ಲಿ ಸರಕನ್ನು ಇಳಿಸಬೇಕಾಗಿತ್ತು. ೪ ಅಲ್ಲಿ
ಶಿಷ್ಯರನ್ನು ಹುಡುಕಿ ಕಂಡು ಏಳು ದಿವಸ ನಿಂತೆವು. ಅವರು ಆತ್ಮನ ಪ್ರೇರಣೆಯಿಂದ ಪೌಲನಿಗೆ —
ನೀನು ಯೆರೂಸಲೇಮಿಗೆ ಕಾಲಿಡಬೇಡವೆಂದು ಹೇಳಿದರು. ೫ ಆ ದಿವಸಗಳನ್ನು
ತೀರಿಸಿಕೊಂಡು ನಾವು ಹೊರಡುವಾಗ ಅವರೆಲ್ಲರೂ ಹೆಂಡರು ಮಕ್ಕಳು ಸಹಿತವಾಗಿ ಬಂದು
ನಮ್ಮನ್ನು ಊರ ಹೊರಕ್ಕೆ ಸಾಗಕಳುಹಿಸಿದರು. ನಾವು ಸಮುದ್ರತೀರದಲ್ಲಿ
ಮೊಣಕಾಲೂರಿಕೊಂಡು ಪ್ರಾರ್ಥನೆ ಮಾಡಿ ೬ ಒಬ್ಬರಿಗೊಬ್ಬರು ವಂದನೆಮಾಡಿ ಹಡಗನ್ನು
ಹತ್ತಿದೆವು; ಅವರು ಹಿಂತಿರುಗಿ ತಮ್ಮತಮ್ಮ ಮನೆಗಳಿಗೆ ಹೋದರು.

೨೧ ೭ ನಾವು ತೂರ್‌ಪಟ್ಟಣದಿಂದ ಹೊರಟು ಪ್ತೊಲೆಮಾಯಕ್ಕೆ ಸೇರಿ ಸಮುದ್ರಪ್ರಯಾಣವನ್ನು
ಮುಗಿಸಿದೆವು. ಅಲ್ಲಿದ್ದ ಸಹೋದರರನ್ನು ವಂದಿಸಿ ಅವರ ಬಳಿಯಲ್ಲಿ ಒಂದು ದಿವಸ
ಇದ್ದು ೮ ಮರುದಿನ ಹೊರಟು ಕೈಸರೈಯಕ್ಕೆ ಬಂದು ಸೌವಾರ್ತಿಕನಾದ ಫಿಲಿಪ್ಪನ ಮನೆಗೆ
ಹೋಗಿ ಅವನ ಬಳಿಯಲ್ಲಿಯೇ ಇಳುಕೊಂಡೆವು. ಅವನು ಆ ಏಳ್ವರಲ್ಲಿ ಒಬ್ಬನು. ೯ ಅವನಿಗೆ
ಮದುವೆಯಾಗದ ನಾಲ್ಕುಮಂದಿ ಹೆಣ್ಣು ಮಕ್ಕಳಿದ್ದರು; ಅವರು ಪ್ರವಾದಿಸುವವರಾಗಿದ್ದರು.
೧೦ ನಾವು ಅಲ್ಲಿ ಅನೇಕ ದಿವಸಗಳು ಇದ್ದ ಮೇಲೆ, ಅಗಬನೆಂಬ ಒಬ್ಬ ಪ್ರವಾದಿಯು
ಯೂದಾಯದಿಂದ ನಮ್ಮ ಬಳಿಗೆ ಬಂದು ಪೌಲನ ನಡುಕಟ್ಟನ್ನು ತೆಗೆದು ೧೧ ತನ್ನ ಕೈಕಾಲುಗಳನ್ನು
ಕಟ್ಟಿಕೊಂಡು — ಈ ನಡುಕಟ್ಟು ಯಾವನದೋ ಆ ಮನುಷ್ಯನನ್ನು ಯೆಹೂದ್ಯರು ಇದೇ
ರೀತಿಯಾಗಿ ಯೆರೂಸಲೇಮಿನಲ್ಲಿ ಕಟ್ಟಿ ಅನ್ಯಜನರ ಕೈಗೆ ಒಪ್ಪಿಸಿ ಕೊಡುವರು, ಹೀಗೆ
ಪವಿತ್ರಾತ್ಮನು ಹೇಳುತ್ತಾನೆಂಬದಾಗಿ ಹೇಳಿದನು. ೧೨ ಆ ಮಾತನ್ನು ಕೇಳಿದಾಗ ನಾವು ಆ
ಸ್ಥಳದವರೂ — ನೀನು ಯೆರೂಸಲೇಮಿಗೆ ಹೋಗಬಾರದೆಂದು ಪೌಲನನ್ನು ಬೇಡಿಕೊಂಡೆವು.
೧೩ ಅದಕ್ಕೆ ಪೌಲನು — ನೀವು ಅತ್ತತ್ತು ಯಾಕೆ ನನ್ನನ್ನು ಎದೆ ಬಡಿಸುತ್ತೀರಿ? ನಾನು ಕರ್ತನಾದ
ಯೇಸುವಿನ ಹೆಸರಿನ ನಿಮಿತ್ತವಾಗಿ ಯೆರೂಸಲೇಮಿನಲ್ಲಿ ಬೇಡೀಹಾಕಿಸಿಕೊಳ್ಳುವದಕ್ಕೆ
ಮಾತ್ರವಲ್ಲದೆ ಸಾಯುವದಕ್ಕೂ ಸಿದ್ಧವಾಗಿದ್ದೇನೆ ಅಂದನು. ೧೪ ಅವನು ಒಡಂಬಡದೆ ಇದ್ದದರಿಂದ
ಕರ್ತನ ಚಿತ್ತವಿದ್ದಂತೆ ಆಗಲಿ ಎಂದು ಹೇಳಿ ನಾವು ಸುಮ್ಮಗಾದೆವು.
೧೫ ಆ ದಿವಸಗಳಾದ ಮೇಲೆ ಸೌರಿಸಿಕೊಂಡು ಯೆರೂಸಲೇಮಿಗೆ ಹೊರಟೆವು.
೧೬ ಕೈಸರೈಯದಿಂದ ಕೆಲವು ಶಿಷ್ಯರು ನಮ್ಮ ಜೊತೆಯಲ್ಲಿ ಬಂದು ನಾವು
ಇಳುಕೊಳ್ಳಬೇಕಾಗಿದ್ದವನ ಮನೆಯ ತನಕ ಕರಕೊಂಡು ಹೋದರು. ಆ ಮನೆಯವನು
ಆದಿಶಿಷ್ಯರಲ್ಲಿ ಒಬ್ಬನಾದ ಕುಪ್ರದೇಶದ ಮ್ನಾಸೋನನೆಂಬವನು. /ಯೆರೂಸಲೇಮಿನ
ಸಭೇಹಿರಿಯರು ಹೇಳಿದ ಆಲೋಚನೆಯನ್ನು ಅನುಸರಿಸಿ ಪೌಲನು ವಿರೋಧಿಗಳಾದ
ಯೆಹೂದ್ಯಕ್ರೈಸ್ತರನ್ನು ಸಮಾಧಾನಪಡಿಸುವದಕ್ಕೆ ಪ್ರಯತ್ನಮಾಡಿದ್ದು ೧೭ ನಾವು
ಯೆರೂಸಲೇಮಿಗೆ ಬಂದಾಗ ಸಹೋದರರು ನಮ್ಮನ್ನು ಸಂತೋಷದಿಂದ ಸೇರಿಸಿಕೊಂಡರು.
೧೮ ಮರುದಿನ ಪೌಲನು ನಮ್ಮನ್ನು ಕರೆದುಕೊಂಡು ಯಾಕೋಬನ ಬಳಿಗೆ ಹೋದನು.
ಸಭೇಹಿರಿಯರೆಲ್ಲರು ಸಹ ಬಂದರು. ೧೯ ಪೌಲನು ಅವರನ್ನು ವಂದಿಸಿ ತನ್ನ ಸೇವೆಯ
ಮೂಲಕವಾಗಿ ದೇವರು ಅನ್ಯಜನರಲ್ಲಿ ಮಾಡಿದ್ದ ಕಾರ್ಯಗಳನ್ನು ಒಂದೊಂದಾಗಿ ವಿವರಿಸಿದನು.
೨೦ ಅವರು ಇದನ್ನು ಕೇಳಿ ದೇವರನ್ನು ಕೊಂಡಾಡಿದರು. ಆಗ ಅವರು ಅವನಿಗೆ ಹೇಳಿದ್ದು —
ಸಹೋದರನೇ, ಯೆಹೂದ್ಯರಲ್ಲಿ ಯೇಸುವನ್ನು ನಂಬಿರುವವರು ಎಷ್ಟೋ ಸಾವಿರ ಮಂದಿ
ಇದ್ದಾರೆಂಬದನ್ನು ನೋಡುತ್ತೀಯಲ್ಲಾ. ಅವರೆಲ್ಲರೂ ಧರ್ಮಶಾಸ್ತ್ರದಲ್ಲಿ ಅಭಿಮಾನಿಗಳಾಗಿದ್ದಾರೆ.
೨೧ ನೀನು ಅನ್ಯಜನರಲ್ಲಿ ವಾಸವಾಗಿರುವ ಯೆಹೂದ್ಯರೆಲ್ಲರಿಗೆ — ನಿಮ್ಮ ಮಕ್ಕಳಿಗೆ
ಸುನ್ನತಿಮಾಡಿಸಬೇಡಿರಿ, ನಿಮ್ಮ ಆಚಾರಗಳನ್ನು ಅನುಸರಿಸಿ ನಡೆಯಬೇಡಿರಿ ಎಂದು ಹೇಳಿ
ಮೋಶೆಯ ಧರ್ಮವನ್ನು ತ್ಯಾಗಮಾಡಬೇಕೆಂಬದಾಗಿ ಬೋಧಿಸುತ್ತೀ ಎಂದು ನಿನ್ನ ವಿಷಯದಲ್ಲಿ
ಬಹಳವಾಗಿ ಕೇಳಿದ್ದಾನೆ. ೨೨ ಹೀಗಿರುವಲ್ಲಿ ಏನು ಮಾಡಬೇಕು? ನೀನು ಬಂದಿರುವದನ್ನು
ಹೇಗೂ ಕೇಳುವರು. ೨೩ ಅದಕಾರಣ ನಾವು ನಿನಗೆ ಹೇಳುವ ಕೆಲಸವನ್ನು ಮಾಡು. ನಮ್ಮಲ್ಲಿ

ವ್ರತಹಿಡಿದವರು ನಾಲ್ಕುಮಂದಿ ಇದ್ದಾರೆ. ೨೪ ನೀನು ಅವರನ್ನು ಕರೆದು ಕೊಂಡುಹೋಗಿ
ಅವರೊಡನೆ ನಿನ್ನನ್ನು ಶುದ್ಧಿಮಾಡಿಕೊಂಡು ಅವರು ತಮ್ಮ ವ್ರತವನ್ನು ತೀರಿಸಿಕೊಳ್ಳುವದಕ್ಕಾಗಿ
ಅವರಿಗೋಸ್ಕರ ಹಣ ವೆಚ್ಚಮಾಡು. ಹೀಗೆ ಮಾಡಿದರೆ ಎಲ್ಲರೂ ನಿನ್ನ ವಿಷಯವಾಗಿ ತಾವು
ಕೇಳಿದ ಸುದ್ದಿ ನಿಜವಲ್ಲವೆಂತಲೂ ನೀನಾದರೂ ಧರ್ಮಶಾಸ್ತ್ರವನ್ನು ಕೈಕೊಂಡು ನಡೆಯುತ್ತೀ
ಎಂತಲೂ ತಿಳುಕೊಳ್ಳುವರು. ೨೫ ಅನ್ಯಜನರಲ್ಲಿ ಯೇಸುವನ್ನು ನಂಬಿರುವವರ ವಿಷಯವಾದರೋ
ವಿಗ್ರಹಕ್ಕೆ ನೈವೇದ್ಯಮಾಡಿದ್ದನ್ನೂ ರಕ್ತವನ್ನೂ ಕುತ್ತಿಗೆಹಿಸುಕಿಕೊಂದದ್ದನ್ನೂ ಹಾದರವನ್ನೂ ಬಿಟ್ಟು
ದೂರವಾಗಿರಬೇಕೆಂಬದಾಗಿ ನಾವು ತೀರ್ಮಾನಿಸಿ ಬರೆದೆವು ಎಂದು ಹೇಳಿದರು. ೨೬ ಆಗ
ಪೌಲನು ಆ ಮನುಷ್ಯರನ್ನು ಕರೆದುಕೊಂಡು ಮರುದಿನ ಅವರೊಡನೆ ತನ್ನನ್ನು ಶುದ್ಧಿಮಾಡಿಕೊಂಡು
ವ್ರತದ ದಿವಸಗಳು ಮುಗಿದವೆಂದು ತಿಳಿಸುವವನಾಗಿ ದೇವಾಲಯದೊಳಗೆ ಹೋದನು.
ಪ್ರತಿಯೊಬ್ಬನಿಗೋಸ್ಕರ ಮಾಡಬೇಕಾದ ಅರ್ಪಣೆಯನ್ನು ಮುಂದೆ ಅರ್ಪಿಸಬೇಕಾಗಿತ್ತು.
/ಯೆಹೂದ್ಯರು ಪೌಲನ ಮೇಲೆ ಬಿದ್ದು ಕೊಲ್ಲಬೇಕೆಂದಿದ್ದಾಗ ರೋಮ್‌ರಾಜ್ಯದ ಸರದಾರನೂ
ಸಿಪಾಯಿಗಳೂ ಅವನನ್ನು ಬಿಡಿಸಿದ್ದು; ಅವನು ಜನರಿಗೆ ಪ್ರತಿವಾದಿಸಿದ್ದು. ೨೭ ಆ ಏಳು
ದಿವಸಗಳು ತುಂಬುತ್ತಿರುವಾಗ ಅಸ್ಯಸೀಮೆಯಿಂದ ಬಂದಿದ್ದ ಯೆಹೂದ್ಯರು ಅವನನ್ನು
ದೇವಾಲಯದಲ್ಲಿ ಕಂಡು ಗುಂಪುಕೂಡಿದ ಜನರೆಲ್ಲರನ್ನು ಕಲಕಿ ಅವನನ್ನು ಹಿಡಿದು —
೨೮ ಇಸ್ರಾಯೇಲ್ ಜನರೇ, ಸಹಾಯಮಾಡಿರಿ, ನಮ್ಮ ಜನರಿಗೂ ಧರ್ಮ ಶಾಸ್ತ್ರಕ್ಕೂ ಈ ಆಲಯಕ್ಕೂ
ವಿರುದ್ಧವಾಗಿ ಎಲ್ಲೆಲ್ಲಿಯೂ ಎಲ್ಲರಿಗೂ ಬೋಧನೆ ಹೇಳುವ ಆ ಮನುಷ್ಯನು ಇವನೇ.
ಇದಲ್ಲದೆ ಇವನು ಗ್ರೀಕರನ್ನು ದೇವಾಲದೊಳಗೆ ಕರೆದುಕೊಂಡು ಬಂದು ಈ ಪರಿಶುದ್ಧಸ್ಥಳವನ್ನು
ಹೊಲೆಮಾಡಿದ್ದಾನೆ ಎಂದು ಕೂಗಿದರು. ೨೯ ಮುಂಚೆ ಅವರು ಎಫೆಸದ ತ್ರೊಫಿಮನನ್ನು ಅವನ
ಸಂಗಡ ಪಟ್ಟಣದಲ್ಲಿ ಕಂಡಿದ್ದರಿಂದ ಅವನನ್ನು ಪೌಲನು ದೇವಾಲಯದೊಳಗೆ ಕರೆದುಕೊಂಡು
ಬಂದನೆಂದು ಭಾವಿಸಿದರು. ೩೦ ಆಗ ಪಟ್ಟಣವೆಲ್ಲಾ ಕಲಕಿಹೋಯಿತು, ಜನರು ಎಲ್ಲಾ ಕಡೆಯಿಂದ
ಓಡಿಬಂದು ಕೂಡಿದರು. ಮತ್ತು ಪೌಲನನ್ನು ಹಿಡಿದು ದೇವಾಲಯದ ಹೊರಗೆ ಎಳೆದುಕೊಂಡು
ಬಂದರು. ಕೂಡಲೇ ಬಾಗಿಲುಗಳನ್ನು ಮುಚ್ಚಿದರು. ೩೧ ಅವರು ಅವನನ್ನು ಕೊಲ್ಲುವದಕ್ಕೆ
ಪ್ರಯತ್ನಿಸುತ್ತಿದ್ದಾಗ ಯೆರೂಸಲೇಮಿನಲ್ಲೆಲ್ಲಾ ಗಲಿಬಿಲಿಯಾಯಿತೆಂದು ಪಟಾಲಮಿನ
ಸಹಸ್ರಾಧಿಪತಿಗೆ ವರದಿ ಬಂತು. ೩೨ ಅವನು ತಕ್ಷಣವೇ ಸಿಪಾಯಿಗಳನ್ನೂ ಶತಾಧಿಪತಿಗಳನ್ನೂ
ತೆಗೆದುಕೊಂಡು ಅವರ ಮೇಲೆ ಓಡಿಬಂದನು. ಅವರು ಸಹಸ್ರಾಧಿಪತಿಯನ್ನೂ ಸಿಪಾಯಿಗಳನ್ನೂ
ನೋಡಿ ಪೌಲನನ್ನು ಹೊಡೆಯುವದನ್ನು ಬಿಟ್ಟರು. ೩೩ ಸಹಸ್ರಾಧಿಪತಿಯು ಹತ್ತರಕ್ಕೆ ಬಂದು
ಅವನನ್ನು ಹಿಡಿದು ಅವನಿಗೆ ಜೋಡು ಬೇಡಿಯನ್ನು ಹಾಕಬೇಕೆಂದು ಅಪ್ಪಣೆಕೊಟ್ಟು
— ೩೪ ಇವನಾರು? ಏನು ಮಾಡಿದ್ದಾನೆ ಎಂದು ಕೇಳಲು ಕೆಲವರು ಹೀಗೆ ಕೆಲವರು ಹಾಗೆ
ಕೂಗುತ್ತಿರಲು ಗದ್ದಲದ ನಿಮಿತ್ತ ನಿಜ ಸ್ಥಿತಿಯನ್ನು ತಿಳಿಯಲಾರದೆ ಅವನನ್ನು ಕೋಟೆಯೊಳಗೆ
ತೆಗೆದುಕೊಂಡುಹೋಗಿರೆಂದು ಅಪ್ಪಣೆಕೊಟ್ಟನು. ೩೫ ಪೌಲನು ಮೆಟ್ಲುಗಳ ಮೇಲೆ ಬಂದಾಗ
ಜನರ ನೂಕಾಟದ ನಿಮಿತ್ತ ಸಿಪಾಯಿಗಳು ಅವನನ್ನು ಹೊತ್ತುಕೊಂಡು ಹೋಗಬೇಕಾಯಿತು.
೩೬ ಯಾಕಂದರೆ ಗುಂಪಾಗಿ ಕೂಡಿದ ಜನರು ಹಿಂದಿನಿಂದ ಬಂದು ಅವನನ್ನು ಕೊಲ್ಲಿರಿ ಎಂದು
ಕೂಗುತ್ತಿದ್ದರು.

೩೭ ಪೌಲನನ್ನು ಕೋಟೆಯೊಳಗೆ ಸೇರಿಸುವದರೊಳಗಾಗಿ ಅವನು ಆ ಸಹಸ್ರಾಧಿಪತಿಯನ್ನು
— ನಿನಗೆ ಒಂದು ಮಾತು ಹೇಳುವದಕ್ಕೆ ನನಗೆ ಅಪ್ಪಣೆ ಆದೀತೇ? ಎಂದು ಕೇಳಲು ಅವನು
— ಗ್ರೀಕ್‌ಭಾಷೆ ನಿನಗೆ ಬರುತ್ತದೋ? ೩೮ ಕೆಲವು ದಿವಸಗಳ ಹಿಂದೆ ದಂಗೆ ಎಬ್ಬಿಸಿ ಆ
ನಾಲ್ಕು ಸಾವಿರ ಮಂದಿ ಘಾತಕರನ್ನು ಅಡವಿಗೆ ಕರೆದುಕೊಂಡು ಹೋದ ಆ ಐಗುಪ್ತ್ಯನು ನೀನೇ
ಅಲ್ಲವೇ ಎಂದು ಕೇಳಿದನು. ೩೯ ಅದಕ್ಕೆ ಪೌಲನು — ನಾನು ಯೆಹೂದ್ಯನು, ತಾರ್ಸದವನು,
ಕಿಲಿಕ್ಯಸೀಮೆಯ ಪ್ರಖ್ಯಾತವಾದ ಪಟ್ಟಣದವನು. ಈ ಜನರಿಗೆ ಕೆಲವು ಮಾತುಗಳನ್ನು ಹೇಳುವದಕ್ಕೆ
ನನಗೆ ಅಪ್ಪಣೆಯಾಗಬೇಕೆಂದು ಕೇಳಿ ಕೊಳ್ಳುತ್ತೇನೆ ಅಂದನು. ೪೦ ಸಹಸ್ರಾಧಿಪತಿಯು ಅಪ್ಪಣೆ
ಕೊಡಲು ಪೌಲನು ಮೆಟ್ಲುಗಳ ಮೇಲೆ ನಿಂತುಕೊಂಡು ಜನರಿಗೆ ಕೈಸನ್ನೆಮಾಡಿದನು. ಗದ್ದಲವು
ಬಹಳ ಮಟ್ಟಿಗೆ ಶಾಂತವಾದ ಮೇಲೆ ಅವನು ಇಬ್ರಿಯ ಭಾಷೆಯಲ್ಲಿ —

೨೨ ೧ ಸಹೋದರರೇ, ತಂದೆಗಳೇ, ಈಗ ನಾನು ನಿಮಗೆ ಮಾಡುವ ಪ್ರತಿವಾದವನ್ನು ಕೇಳಿರಿ
ಎಂದು ಕೂಗಿ ಹೇಳಿದನು.

೨ ಅವನು ತಮ್ಮ ಸಂಗಡ ಇಬ್ರಿಯ ಭಾಷೆಯಲ್ಲಿ ಮಾತಾಡುವದನ್ನು ಕೇಳಿ ಅವರು ಮತ್ತೂ
ನಿಶ್ಶಬ್ದವಾದರು. ಆಗ ಅವನು ಹೇಳಿದ್ದೇನಂದರೆ —

೩ ನಾನು ಯೆಹೂದ್ಯನು, ಕಿಲಿಕ್ಯದ ತಾರ್ಸದಲ್ಲಿ ಹುಟ್ಟಿದವನು, ಆದರೆ ಈ ಪಟ್ಟಣದಲ್ಲೇ
ಬೆಳೆದವನು. ಗಮಲಿಯೇಲನು ಪಾದಸನ್ನಿಧೀಯಲ್ಲಿ ನಮ್ಮ ಪಿತೃಗಳ ಧರ್ಮಶಾಸ್ತ್ರದಲ್ಲಿ ಪೂರ್ಣ
ಶಿಕ್ಷಿತನಾದೆನು; ನೀವೆಲ್ಲರೂ ಈಹೊತ್ತು ದೇವರ ವಿಷಯದಲ್ಲಿ ಅಭಿಮಾನಿಗಳಾಗಿರುವಂತೆಯೇ
ನಾನು ಅಭಿಮಾನಿಯಾಗಿದ್ದೆನು. ೪ ಕ್ರಿಸ್ತ ಮಾರ್ಗದವರನ್ನು ಹಿಂಸಿಸುವವನಾಗಿ ಗಂಡಸರಿಗೂ
ಹೆಂಗಸರಿಗೂ ಬೇಡೀಹಾಕಿಸುತ್ತಾ ಅವರನ್ನು ಸೆರೆಮನೆಗಳಿಗೆ ಕೊಡಿಸುತ್ತಾ ಇದ್ದೆನು,
ಅವರ ಕೊಲೆಗಾದರೂ ಹಿಂತೆಗೆಯಲಿಲ್ಲ. ೫ ಈ ವಿಷಯದಲ್ಲಿ ಮಹಾಯಾಜಕನೂ
ಹಿರೀಸಭೆಯವರೆಲ್ಲರೂ ಸಾಕ್ಷಿಗಳಾಗಿದ್ದಾರೆ. ಅವರಿಂದಲೇ ನಾನು ದಮಸ್ಕದಲ್ಲಿದ್ದ
ಸಹೋದರರಿಗೆ ಕಾಗದಗಳನ್ನು ತೆಗೆದುಕೊಂಡು ಅಲ್ಲಿಗೆ ಹೋದವರನ್ನೂ ಬೇಡಿಗಳಿಂದ
ದಂಡನೆಗಾಗಿ ಯೆರೂಸಲೇಮಿಗೆ ತರಬೇಕೆಂದು ಹೊರಟೆನು. ೬ ನಾನು ಪ್ರಯಾಣಮಾಡುತ್ತಾ
ದಮಸ್ಕದ ಹತ್ತರಕ್ಕೆ ಬಂದಾಗ ಸುಮಾರು ಮಧ್ಯಾಹ್ನದಲ್ಲಿ ಫಕ್ಕನೆ ಆಕಾಷದೊಳಗಿಂದ ಒಂದು ದೊಡ್ಡ
ಬೆಳಕು ನನ್ನ ಸುತ್ತಲು ಹೊಳೆಯಿತು, ನಾನು ನೆಲಕ್ಕೆ ಬಿದ್ದೆನು. ೭ ಆಗ — ಸೌಲನೇ, ಸೌಲನೇ,
ನನ್ನನ್ನು ಯಾಕೆ ಹಿಂಸೆಪಡಿಸುತ್ತೀ? ಎಂದು ನನಗೆ ಹೇಳಿದ ಒಂದು ತಬ್ದವನ್ನು ಕೇಳಿದೆನು.
೮ ಅದಕ್ಕೆ ನಾನು — ಕರ್ತನೇ, ನೀನಾರು? ಎಂದು ಕೇಳಲು ಆತನು — ನೀನು ಹಿಂಸೆಪಡಿಸುವ
ನಜರೇತಿನ ಯೇಸುವೇ ನಾನು ಎಂದು ನನಗೆ ಹೇಳಿದನು. ೯ ನನ್ನ ಜೊತೆಯಲ್ಲಿದ್ದವರು ಬೆಳಕನ್ನು
ಕಂಡರೇ ಹೊರತು ನನ್ನ ಸಂಗಡ ಮಾತಾಡಿದವನ ಶಬ್ದವನ್ನು ಕೇಳಲಿಲ್ಲ. ೧೦ ಆಗ ನಾನು — ಕರ್ತನೇ,
ನಾನೇನು ಮಾಡಬೇಕು? ಎಂದು ಕೇಳಲು ಕರ್ತನು ನನಗೆ — ನೀನೆದ್ದು ದಮಸ್ಕದೊಳಕ್ಕೆ
ಹೋಗು, ಮಾಡುವದಕ್ಕೆ ನಿನಗೆ ನೇಮಿಸಿರುವದೆಲ್ಲಾ ಲ್ಲಿ ತಿಳಿಸಲ್ಪಡುವದು ಎಂದು ಹೇಳಿದನು.
೧೧ ಆ ಬೆಳಕಿನ ಪ್ರಭಾವದಿಂದ ನನಗೆ ಕಣ್ಣುಕಾಣದೆ ಇದ್ದದರಿಂದ ನನ್ನ ಜೊತೆಯಲ್ಲಿದ್ದವರು
ನನ್ನನ್ನು ಕೈಹಿಡಿಉದು ದಮಸ್ಕದೊಳಕ್ಕೆ ಕರೆದುಕೊಂಡುಹೋದರು. ೧೨ ಅಲ್ಲಿ ಧರ್ಮಶಾಸ್ತ್ರಕ್ಕೆ
ಸರಿಯಾಗಿ ನಡೆಯುವ ಸದ್ಭಕ್ತನೂ ಆ ಸ್ಥಳದ ಯೆಹೂದ್ಯರೆಲ್ಲರಿಂದ ೧೩ ಒಳ್ಳೆಯವನೆಂದು
ಹೆಸರು ಹೊಂದಿದವನೂ ಆಗಿದ್ದ ಅನನೀಯನೆಂಬವನು ನನ್ನ ಬಳಿಗೆ ಬಂದು ನಿಂತು —
ಸಹೋದರನಾದ ಪೌಲನೇ, ನಿನಗೆ ಕಣ್ಣುಕಾಣಿಸಲಿ ಎಂದು ಹೇಳಿದನು. ಹೇಳಿದಾಕ್ಷಣವೇ ನನಗೆ
ಕಣ್ಣು ಕಾಣಿಸಿತು, ನಾನು ಅವನನ್ನು ನೋಡಿದೆನು. ೧೪ ಆ ಮೇಲೆ ಅವನು — ನಮ್ಮ ಪಿತೃಗಳ
ದೇವರು ತನ್ನ ಚಿತ್ತವನ್ನು ನೀನು ತಿಳುಕೊಳ್ಳುವದಕ್ಕೂ ಆ ನೀತಿವಂತನನ್ನು ನೋಡುವದಕ್ಕೂ ಆತನ
ಬಾಯಿಂದ ಒಂದು ಮಾತನ್ನು ಕೇಳುವದಕ್ಕೂ ನಿನ್ನನ್ನು ನೇಮಿಸಿದ್ದಾನೆ. ೧೫ ನೀನು ಕಂಡು ಕೇಳಿದ್ದರ
ವಿಷಯದಲ್ಲಿ ಎಲ್ಲಾ ಮನುಷ್ಯರ ಮುಂದೆ ಆತನಿಗೆ ಸಾಕ್ಷಿಯಾಗಿರವೇಕು. ೧೬ ಈಗ ನೀನೇಕೆ
ಸಾವಕಾಶಮಾಡುತ್ತೀ? ಎದ್ದು ಆತನ ಹೆಸರನ್ನು ಹೇಳಿಕೊಳ್ಳುವವನಾಗಿ ದೀಕ್ಷಾಸ್ನಾನಮಾಡಿಸಿ
ಕೊಂಡು ನಿನ್ನ ಪಾಪಗಳನ್ನು ತೊಳೆದುಕೋ ಅಂದನು.
೧೭ ಅನಂತರದಲ್ಲಿ ನಾನು ಯೆರೂಸಲೇಮಿಗೆ ಹಿಂತಿರುಗಿ ಬಂದು ದೇವಾಲಯದೊಳಗೆ
ಪ್ರಾರ್ಥನೆಮಾಡುತ್ತಿದ್ದಾಗ ಧ್ಯಾನಪರವಶನಾಗಿ ಯೇಸುವನ್ನು ಕಂಡೆನು. ೧೮ ಆತನು — ನೀನು
ತ್ವರೆಪಟ್ಟು ಬೇಗನೆ ಯೆರೂಸಲೇಮಿನಿಂದ ಹೊರಟುಹೋಗು, ನನ್ನ ವಿಷಯದಲ್ಲಿ ನೀನು
ಹೇಳೂವ ಸಾಕ್ಷಿಯನ್ನು ಅವರು ಅಂಗೀಕರಿಸುವದಿಲ್ಲ ಅಂದನು. ೧೯ ಅದಕ್ಕೆ ನಾನು — ಕರ್ತನೇ,
ಎಲ್ಲಾ ಸಭಾಮಂದಿರಗಳಲ್ಲಿ ನಿನ್ನ ಮೇಲೆ ನಂಬಿಕೆಯಿಟ್ಟವರನ್ನು ನಾನು ಸೆರೆಮನೆಯಲ್ಲಿ
ಹಾಕಿಸುತ್ತಾ ಹೊಡಿಸುತ್ತಾ ಇದ್ದೆನೆಂಬನ್ನು ಅವರೇ ತಿಳಿದಿದ್ದಾರೆ; ೨೦ ಮತ್ತು ನಿನ್ನ ಸಾಕ್ಷಿಯಾದ
ಸ್ತೆಫನನ ರಕ್ತವು ಚೆಲ್ಲಿಸಲ್ಪಟ್ಟಾಗ ನಾನೂ ಹತ್ತರ ನಿಂತು ಒಪ್ಪಿಕೊಂಡು ಅವನನ್ನು ಕೊಂದವರ
ವಸ್ತ್ರಗಳನ್ನು ಕಾಯುತ್ತಿದ್ದೆನಲ್ಲಾ ಅಂದೆನು. ೨೧ ಆತನು — ನೀನು ಹೋಗು, ನಾನು ನಿನ್ನನ್ನು ದೂರಕ್ಕೆ
ಅನ್ಯಜನರಬಳಿಗೆ ಕಳುಹಿಸುತ್ತೇನೆಂದು ಹೇಳಿದನು.
೨೨ ಈ ಮಾತಿನ ತನಕ ಅವರು ಕೇಳುತ್ತಿದ್ದರು; ಆ ಮೇಲೆ — ಇಂಥವನನ್ನು ಭೂಮಿಯಿಂದ
ತೆಗೆದುಹಾಕಿಬಿಡು; ಇವನು ಬದುಕುವದು ಯುಕ್ತವಲ್ಲವೆಂದು ಕೂಗಿಹೇಳಿದರು. ೨೩ ಅವರು
ಕೂಗುತ್ತಾ ತಮ್ಮ ವಸ್ತ್ರಗಳನ್ನು ಕಿತ್ತುಹಾಕುತ್ತಾ ಧೂಳನ್ನು ತೂರುತ್ತಾ ಇರಲಾಗಿ ೨೪ ಯಾವ
ಕಾರಣದಿಂದ ಹೀಗೆ ಅವನಿಗೆ ವಿರುದ್ಧವಾಗಿ ಕೂಗಾಡುತ್ತಾರೆಂಬದನ್ನು ಸಹಸ್ರಾಧಿಪತಿಯು
ತಿಳುಕೊಳ್ಳುವದಕ್ಕಾಗಿ ಅವನನ್ನು ಕೋಟೆಯೊಳಗೆ ತಂದು ಕೊರಡೆಗಳಿಂದ ಹೊಡೆದು
ವಿಚಾರಿಸಬೇಕೆಂದು ಆಜ್ಞಾಪಿಸಿದನು. ೨೫ ಅವರು ಪೌಲನನ್ನು ಬೊಗ್ಗಿಸಿ ಬಾರುಗಳಿಂದ ಕಟ್ಟುವಾಗ
ಅವನು ತನ್ನ ಹತ್ತರ ನಿಂತಿದ್ದ ಶತಾಧಿಪತಿಯನ್ನು — ರೋಮಾಪುರದ ಹಕ್ಕುದಾರನಾದ ಮನುಷ್ಯನನ್ನು
ನ್ಯಾಯವಿಚಾರಣೆಮಾಡದೆ ಕೊರಡೆಗಳಿಂದ ಹೊಡಿಸುವದು ನಿಮಗೆ ನ್ಯಾಯವೋ? ಎಂದು
ಕೇಳಿದನು. ೨೬ ಶತಾಧಿಪತಿಯು ಆ ಮಾತನ್ನು ಕೇಳಿ ಸಹಸ್ರಾಧಿಪತಿಯ ಬಳಿಗೆ ಹೋಗಿ —

ನೀನು ಏನು ಮಾಡಬೇಕೆಂದಿದ್ದೀ? ಈ ಮನುಷ್ಯನು ರೋಮಾಪುರದ ಹಕ್ಕುದಾರನು ಎಂದು
ಹೇಳಲು [೨೭] ಸಹಸ್ರಾಧಿಪತಿಯು ಪೌಲನ ಹತ್ತರಕ್ಕೆ ಬಂದು — ನೀನು ರೋಮಾಪುರದವರ
ಹಕ್ಕುಳ್ಳವನೇನು? ನನಗೆ ಹೇಳು ಎಂದು ಅವನನ್ನು ಕೇಳಿದನು. ಅವನು, ಹೌದು ಅಂದನು.
[೨೮] ಅದಕ್ಕೆ ಸಹ ಸ್ರಾಧಿಪತಿಯು — ನಾನು ಬಹಳ ಹಣಕೊಟ್ಟು ಆ ಹಕ್ಕನ್ನು ಕೊಂಡುಕೊಂಡೆನು
ಅನ್ನಲು ಪೌಲನು — ನಾನಾದರೋ ಹಕ್ಕುದಾರನಾಗಿ ಹುಟ್ಟಿದವನು ಅಂದನು. [೨೯] ಅವನನ್ನು
ಹೊಡೆದುವಿಚಾರಿಸುವದಕ್ಕೆ ಬಂದವರು ಕೂಡಲೆ ಅವನನ್ನು ಬಿಟ್ಟರು. ಅದಲ್ಲದೆ ಅವನನ್ನು
ರೋಮಾಪುರದ ಹಕ್ಕುದಾರನೆಂದು ಸಹಸ್ರಾಧಿಪತಿಗೆ ತಿಳಿದುಬಂದಾಗ ತಾನು ಅವನನ್ನು
ಕಟ್ಟಿಸಿದ್ದರಿಂದ ಅವನಿಗೂ ಭಯಹಿಡಿಯಿತು.

## ಪೌಲನು ಹಿರೀಸಭೆಯವರ ಮುಂದೆ ನಿಂತು ಮಾತಾಡಿದ್ದು

[೩೦] ಪೌಲನ ಮೇಲೆ ಯೆಹೂದ್ಯರು ಯಾವ ತಪ್ಪು ಹೊರಿಸುತ್ತಾರೆಂಬುವ ವಿಷಯದಲ್ಲಿ
ನಿಜವಾದ ಸಂಗತಿಯನ್ನು ತಿಳಿಯಬೇಕೆಂದು ಅಪೇಕ್ಷಿಸಿ ಸಹಸ್ರಾಧಿಪತಿಯು ಮರುದಿನ ಅವನ
ಬೇಡಿಗಳನ್ನು ಬಿಚ್ಚಿ ಮಹಾಯಾಜಕರೂ ಹಿರೀಸಭೆಯವರೆಲ್ಲರೂ ಕೂಡಿಬರುವದಕ್ಕೆ ಅಪ್ಪಣೆ
ಕೊಟ್ಟು ಪೌಲನನ್ನು ಕರೆದುಕೊಂಡುಹೋಗಿ ಅವರ ಮುಂದೆ ನಿಲ್ಲಿಸಿದನು.

೨೩ [೧] ಆಗ ಪೌಲನು ಹಿರೀಸಭೆಯನ್ನು ದೃಷ್ಟಿಸಿ ನೋಡಿ — ಸಹೋದರರೇ, ನಾನು ಈ ದಿನದ
ವರೆಗೂ ಒಳ್ಳೇ ಮನಸ್ಸಾಕ್ಷಿಯಿಂದ ದೇವರ ಮುಂದೆ ನಡೆದುಕೊಂಡಿದ್ದೇನೆ ಅಂದನು.
[೨] ಅದಕ್ಕೆ ಮಹಾಯಾಜಕನಾದ ಅನನೀಯನು — ಅವನ ಬಾಯ ಮೇಲೆ ಹೊಡೆಯಿರಿ ಎಂದು
ಹತ್ತರದಲ್ಲಿ ನಿಂತಿದ್ದವರಿಗೆ ಅಪ್ಪಣೆ ಕೊಡಲು ಪೌಲನು ಅವನಿಗೆ — [೩] ಎಲೈ ಸುಣ್ಣಾ ಹಚ್ಚಿದ
ಗೋಡೆಯೇ, ದೇವರು ನಿನ್ನನ್ನು ಹೊಡೆಯುವನು. ನೀನು ಧರ್ಮಶಾಸತ್ರಾನುಸಾರವಾಗಿ ನನ್ನ
ವಿಚಾರಣೆಮಾಡುವದಕ್ಕೆ ಕೂತುಕೊಂಡು ಧರ್ಮಶಾಸ್ತ್ರವಿರುದ್ಧವಾಗಿ ನನ್ನನ್ನು ಹೊಡೆಯುವದಕ್ಕೆ
ಅಪ್ಪಣೆಕೊಡುತ್ತೀಯೋ? ಅಂದನು. [೪] ಹತ್ತರ ನಿಂತಿದ್ದವರು — ದೇವರು ನೇಮಿಸಿದ
ಮಹಾಯಾಜಕನನ್ನು ನೀನು ಬೈಯುತ್ತೀಯಾ? ಅನ್ನಲು ಪೌಲನು — [೫] ಸಹೋದರರೇ,
ಮಹಾಯಾಜಕನೆಂದು ನನಗೆ ತಿಳಿಯಲಿಲ್ಲ. ನಿನ್ನ ಜನರಲ್ಲಿ ಅಧಿಪತಿಯಾಗಿರುವವನ
ವಿಷಯವಾಗಿ ಕೆಟ್ಟದ್ದೇನೂ ಆಡಬಾರದೆಂದು ಬರೆದದೆಯಷ್ಟೆ ಅಂದನು. [೬] ಸಭೆಯವರಲ್ಲಿ
ಒಂದು ಪಾಲು ಸದ್ದುಕಾಯರೂ ಒಂದುಪಾಲು ಫರಿಸಾಯರೂ ಇರುವದನ್ನು ಪೌಲನು ತಿಳಿದು —
ಸಹೋದರರೇ, ನಾನು ಫರಿಸಾಯನು, ಫರಿಸಾಯರ ಮಗನು; ಸತ್ತವರೆದ್ದುಬರುವರು ಎಂಬ
ನಿರೀಕ್ಷೆಯ ವಿಷಯವಾಗಿ ನನ್ನನ್ನು ವಿಚಾರಣೆಮಾಡುತ್ತಾರೆ ಎಂದು ಕೂಗಿದನು. [೭] ಇದನ್ನು
ಅವನು ಹೇಳಿದಾಗ ಫರಿಸಾಯರಿಗೂ ಸದ್ದುಕಾಯರಿಗೂ ಜಗಳ ಹುಟ್ಟಿತು; ಸಭೆಯಲ್ಲಿ
ಭೇದವುಂಟಾಯಿತು. [೮] ಯಾಕಂದರೆ — ಸತ್ತವರು ಎದ್ದುಬರುವದಿಲ್ಲವೆಂತಲೂ ದೇವದೂತನಾಗಲೆ
ದೇಹವಿಲ್ಲದ ಆತ್ಮವಗಲಿ ಇಲ್ಲವೆಂತಲೂ ಸದ್ದುಕಾಯರು ಹೇಳುವರು. [೯] ಆಗ ಎರಡೂ ಉಂಟೆಂದು
ಫರಿಸಾಯರು ಒಪ್ಪಿಕೊಳ್ಳುವರು. ಆಗ ದೊಡ್ಡ ಕೂಗಾಟವಾಯಿತು. ಫರಿಸಾಯರ ಪಕ್ಷದವರಾದ
ಶಾಸ್ತ್ರಿಗಳಲ್ಲಿ ಕೆಲವರು ಎದ್ದು — ಈ ಮನುಷ್ಯನಲ್ಲಿ ನಮಗೆ ಕೆಟ್ಟದ್ದೇನೂ ಕಾಣಬರುವದಿಲ್ಲ;
ಆತ್ಮವಾಗಲಿ ದೇವದೂತನಾಗಲಿ ಅವನ ಸಂಗಡ ಮಾತಾಡಿದ್ದರೂ ಮಾತಾಡಿರಬಹುದು ಎಂದು
ವಾಗ್ವಾದಮಾಡಿದರು. [೧೦] ಜಗಳವು ಬಹಳವಾದಾಗ ಅವರು ಪೌಲನನ್ನು ಎಳದಾಡಿ ಚೂರುಚೂರು
ಮಾಡಾರೆಂದು ಸಹಸ್ರಾಧಿಪತಿಯು ಭಯಪಟ್ಟು ಸಿಪಾಯಿಗಳಿಗೆ — ನೀವು ಹೋಗಿ ಅವರ
ಮಧ್ಯದಿಂದ ಅವನನ್ನು ಬಲವಂತವಾಗಿ ಹಿಡಿದು ಕೋಟೆಯೊಳಗೆ ತರಬೇಕೆಂದು ಆಜ್ಞೆ
ಕೊಟ್ಟನು.
[೧೧] ಆ ದಿನದ ರಾತ್ರಿ ಕರ್ತನು ಪೌಲನ ಬಳಿಯಲ್ಲಿ ನಿಂತುಕೊಂಡು — ಧೈರ್ಯದಿಂದಿರು;
ನೀನು ಯೆರೂಸಲೇಮಿನಲ್ಲಿ ನನ್ನ ಸಂಗತಿಯನ್ನೆಲ್ಲಾ ಸಾಕ್ಷಿಯಾಗಿ ಹೇಳಿದಂತೆಯೇ
ರೋಮಾಪುರದಲ್ಲಿಯೂ ಸಾಕ್ಷಿಹೇಳಬೇಕಾಗುವದು ಅಂದನು.

## ಕೆಲವರು ಪೌಲನನ್ನು ಕೊಲ್ಲುವದಕ್ಕೆ ಶಪಥಮಾಡಲು ಸಹಸ್ರಾಧಿಪತಿಯು ಅವನನ್ನು ಕೈಸರೈಯಕ್ಕೆ ದೇಶಾಧಿಪತಿಯಾದ ಫೇಲಿಕ್ಸನ ಬಳಿಗೆ ಕಳುಹಿಸಿದ್ದು.

[೧೨] ಬೆಳಗಾದ ಮೇಲೆ ಯೆಹೂದ್ಯರು ಒಳಸಂಚು ಮಾಡಿ — ನಾವು ಪೌಲನನ್ನು ಕೊಲ್ಲುವ ತನಕ
ಅನ್ನಪಾನವೇನೂ ಮುಟ್ಟುವದಿಲ್ಲವೆಂದು ಶಪಥಮಾಡಿಕೊಂಡರು. [೧೩] ಹೀಗೆ ಮಾಡಿದವರು
ನಾಲ್ವತ್ತು ಮಂದಿಗಿಂತ ಹೆಚ್ಚಾಗಿದ್ದರು. [೧೪] ಇವರು ಮಹಾಯಾಜಕರ ಮತ್ತು ಸಭೇಹಿರಿಯರ ಬಳಿಗೆ

ಹೋಗಿ — ನಾವು ಪೌಲನನ್ನು ಕೊಲ್ಲುವ ತನಕ ಬಾಯಲ್ಲಿ ಏನೂ ಹಾಕುವದಿಲ್ಲವೆಂದು ಕಠಿನ
ಶಪಥವನ್ನು ಮಾಡಿಕೊಂಡಿದ್ದೇವೆ. ೧೫ ಆದದರಿಂದ ನೀವು ಸಭೆಯವರ ಸಹಿತ ಸಹಸ್ರಾಧಿಪತಿಯ
ಬಳಿಗೆ ಹೋಗಿ ಪೌಲನ ಸಂಗತಿಯನ್ನು ಇನ್ನೂ ಸೂಕ್ಷ್ಮವಾಗಿ ವಿಮರ್ಶೆಮಾಡಬೇಕೆಂದು
ನೆವಹೇಳಿ ಅವನನ್ನು ಕೋಟೆಯಿಂದ ನಿಮ್ಮ ಬಳಿಗೆ ಕರೆದುಕೊಂಡು ಬರುವ ಹಾಗೆ ಕೇಳಿ
ಕೊಳ್ಳಬೇಕು. ನಾವಾದರೋ ಅವನು ಹತ್ತರ ಬರುವದಕ್ಕಿಂತ ಮುಂಚೆಯೇ ಅವನನ್ನು ಕೊಲ್ಲುವದಕ್ಕೆ
ಸಿದ್ಧವಾಗಿದ್ದೇವೆ ಅಂದರು. ೧೬ ಅವರು ಹೊಂಚಿಕೊಂಡಿರುವದನ್ನು ಪೌಲನ ಸೋದರಳಿಯನು
ಕೇಳಿ ಕೋಟೆಯೊಳಗೆ ಬಂದು ಪೌಲನಿಗೆ ತಿಳಿಸಿದನು. ೧೭ ಪೌಲನು ಶತಾಧಿಪತಿಗಳಲ್ಲಿ
ಒಬ್ಬನನ್ನು ಕರೆಯಿಸಿ — ಈ ಯೌವನಸ್ಥನನ್ನು ಸಹಸ್ರಾಧಿಪತಿಯ ಬಳಿಗೆ ಕರೆದುಕೊಂಡು ಹೋಗು;
ಅವನಿಗೆ ತಿಳಿಸಬೇಕಾದ ಒಂದು ಮಾತು ಅದೆ ಎಂದು ಹೇಳಿದನು. ೧೮ ಶತಾಧಿಪತಿ ಅವನನ್ನು
ಸಹಸ್ರಾಧಿಪತಿಯ ಬಳಿಗೆ ಕರೆದುಕೊಂಡು ಹೋಗಿ — ಸೆರೆಯವನಾದ ಪೌಲನು ನನ್ನನ್ನು ಕರೆದು
ಈ ಯೌವನಸ್ಥನನ್ನು ತಮ್ಮ ಬಳಿಗೆ ಕರೆದುಕೊಂಡುಹೋಗುವಂತೆ ಬೇಡಿಕೊಂಡನು; ತಮಗೆ
ತಿಳಿಸಬೇಕಾದ ಏನೋ ಒಂದು ಮಾತು ಅದೆಯಂತೆ ಎಂಬದಾಗಿ ಹೇಳಲು ೧೯ ಸಹಸ್ರಾಧಿಪತಿಯು
ಅವನನ್ನು ಕೈಹಿಡಿದು ಒಂದು ಕಡೆಗೆ ಏಕಾಂತವಾಗಿ ಕರೆದುಕೊಂಡು ಹೋಗಿ — ನೀನು
ನನಗೆ ಹೇಳಬೇಕಾದದ್ದು ಏನು? ಎಂದು ಕೇಳಿದನು. ೨೦ ಅವನು — ಯೆಹೂದ್ಯರು ಪೌಲನ
ಸಂಗತಿಯನ್ನು ಇನ್ನೂ ಸೂಕ್ಷ್ಮವಾಗಿ ವಿಚಾರಣೆಮಾಡಬೇಕೆಂಬ ನೆವ ಹೇಳಿ ನೀನು ನಾಳೆ
ಅವನನ್ನು ಹಿರೀಸಭೆಯ ಬಳಿಗೆ ಕರೆದುಕೊಂಡು ಬರಬೇಕೆಂದು ಕೇಳಿಕೊಳ್ಳುವದಕ್ಕೆ ಒಪ್ಪಂದ
ಮಾಡಿಕೊಂಡಿದ್ದಾರೆ. ೨೧ ನೀನು ಅವರ ಮಾತಿಗೆ ಒಡಂಬಡಬೇಡ; ಯಾಕಂದರೆ ನಾಲ್ವತ್ತಕ್ಕಿಂತ
ಹೆಚ್ಚು ಮಂದಿ ತಾವು ಅವನನ್ನು ಕೊಲ್ಲುವ ತನಕ ಅನ್ನಪಾನವೇನೂ ಮುಟ್ಟುವದಿಲ್ಲವೆಂದು
ಶಪಥವನ್ನು ಮಾಡಿಕೊಂಡು ಅವನಿಗೋಸ್ಕರ ಹೊಂಚುಹಾಕುತ್ತಾ ಇದ್ದಾರೆ. ಈಗ ಅವರು ನಿನ್ನ
ಅಪ್ಪಣೆಯನ್ನು ಎದುರುನೋಡುತ್ತಾ ಸಿದ್ಧವಾಗಿದ್ದಾರೆ ಅಂದನು. ೨೨ ಆಗ ಸಹಸ್ರಾಧಿಪತಿಯು ಆ
ಯೌವನಸ್ಥನಿಗೆ — ಈ ಸಂಗತಿಗಳನ್ನು ನನಗೆ ಸೂಚಿಸಿದ್ದನ್ನು ನೀನು ಯಾರಿಗೂ ಹೇಳಬೇಡ
ಎಂದು ಖಂಡಿತವಾಗಿ ಅಪ್ಪಣೆ ಕೊಟ್ಟು ಅವನನ್ನು ಕಳುಹಿಸಿಬಿಟ್ಟನು. ೨೩ ಆ ಮೇಲೆ ಅವನು
ಶತಾಧಿಪತಿಗಳಲ್ಲಿ ಇಬ್ಬರನ್ನು ಕರೆಯಿಸಿ — ರಾತ್ರಿ ಒಂಭತ್ತು ಘಂಟೆಗೆ ಕೈಸರೈಯದ ತನಕ
ಹೋಗುವಂತೆ ಇನ್ನೂರು ಮಂದಿ ಸಿಪಾಯಿಗಳನ್ನೂ ಎಪ್ಪತ್ತುಮಂದಿ ಸವಾರರನ್ನೂ ಇನ್ನೂರು ಮಂದಿ
ಭಲ್ಲೆಯವರನ್ನೂ ಸಿದ್ಧಮಾಡಿರಿ; ೨೪ ಮತ್ತು ಕುದುರೆಗಳನ್ನು ಸಿದ್ಧಮಾಡಿ ಪೌಲನನ್ನು ಹತ್ತಿಸಿ
ದೇಶಾಧಿಪತಿಯಾದ ಫೇಲಿಕ್ಸನ ಬಳಿಗೆ ಸುರಕ್ಷಿತವಾಗಿ ಕರೆದುಕೊಂಡುಹೋಗಬೇಕೆಂದು
ಹೇಳಿದನು. ೨೫ ಇದಲ್ಲದೆ ಈ ಕೆಳಗಣ ಅಭಿಪ್ರಾಯದ ಒಂದು ಕಾಗದವನ್ನು ಬರೆದನು, ಏನಂದರೆ
— ೨೬ ಮಹಾರಾಜರಾಜಶ್ರೀ ದೇಶಾಧಿಪತಿಯಾದ ಫೇಲಿಕ್ಸನಿಗೆ ಕ್ಲೌದ್ಯ ಲೂಸ್ಯನು ಮಾಡುವ
ವಂದನೆ. ೨೭ ಯೆಹೂದ್ಯರು ಈ ಮನುಷ್ಯನನ್ನು ಹಿಡಿದು ಕೊಲ್ಲಬೇಕೆಂದಿದ್ದಾಗ ನಾನು
ಸಿಪಾಯಿಗಳೊಂದಿಗೆ ಹೋಗಿ ಅವನನ್ನು ರೋಮಾಪುರದ ಹಕ್ಕುದಾರನೆಂದು ತಿಳಿದು ಅವನನ್ನು
ತಪ್ಪಿಸಿದೆನು. ೨೮ ಇದಲ್ಲದೆ ಅವನ ಮೇಲೆ ತಪ್ಪು ಹೊರಿಸಿದ ಕಾರಣವನ್ನು ತಿಳಿಯಲಪೇಕ್ಷಿಸಿ
ಅವನನ್ನು ಅವರ ಹಿರೀಸಭೆಗೆ ಕರೆದುಕೊಂಡು ಹೋದೆನು. ೨೯ ಅಲ್ಲಿ ಅವರು ತಮ್ಮ
ಧರ್ಮಶಾಸ್ತ್ರವಿಷಯಗಳನ್ನು ಹಿಡಿದು ಅವನ ಮೇಲೆ ತಪ್ಪು ಹೊರಿಸಿದರೇ ಹೊರತು ಮರಣ
ದಂಡನೆಗಾಗಲಿ ಬೇಡಿಗಾಗಲಿ ಆಧಾರವಾದ ಯಾವ ಅಪರಾಧವನ್ನೂ ಹೊರಿಸಲಿಲ್ಲವೆಂದು
ನನಗೆ ಕಂಡುಬಂತು. ೩೦ ಈ ಮನುಷ್ಯನಿಗೆ ವಿರುದ್ಧವಾಗಿ ಒಳಸಂಚು ಹುಟ್ಟಿತೆಂದು ನನಗೆ
ತಿಳಿದುಬಂದದರಿಂದ ಕೂಡಲೆ ನಾನು ಅವನನ್ನು ನಿನ್ನ ಬಳಿಗೆ ಕಳುಹಿಸಿ ತಪ್ಪುಹೊರಿಸುವವರಿಗೆ
ನಿನ್ನ ಮುಂದೆಯೇ ಅವನಿಗೆ ವಿರುದ್ಧವಾಗಿ ಮಾತಾಡುವ ಹಾಗೆ ಅಪ್ಪಣೆ ಕೊಟ್ಟೆನು ಎಂಬದೇ.

೩೧ ಸಿಪಾಯಿಗಳು ತಮಗೆ ಅಪ್ಪಣೆಯಾದಂತೆ ರಾತ್ರಿಕಾಲದಲ್ಲಿ ಪೌಲನನ್ನು ಅಂತಿಪತ್ರಿಗೆ
ಕರೆದುಕೊಂಡು ಹೋದರು. ೩೨ ಮರುದಿನ ಅವರು ಸವಾರರನ್ನು ಅವನ ಜೊತೆಯಲ್ಲಿ
ಹೋಗುವಂತೆ ಮಾಡಿ ತಾವು ಕೋಟೆಗೆ ಹಿಂತಿರುಗಿ ಬಂದನು. ೩೩ ಸವಾರರು ಕೈಸರೈಯಕ್ಕೆ
ಸೇರಿ ದೇಶಾಧಿಪತಿಗೆ ಕಾಗದವನ್ನು ಒಪ್ಪಿಸಿ ಪೌಲನನ್ನು ಅವನ ಮುಂದೆ ನಿಲ್ಲಿಸಿದರು.
೩೪ ದೇಶಾಧಿಪತಿಯು ಆ ಕಾಗದವನ್ನು ಓದಿ ಪೌಲನು ಯಾವ ಸೀಮೆಯವನು? ಎಂದು ಕೇಳಿ
ಅವನು ಕಿಲಿಕ್ಯದವನೆಂದು ತಿಳಿದು — ೩೫ ನಿನ್ನ ಮೇಲೆ ತಪ್ಪುಹೊರಿಸುವವರು ಬಂದನಂತರ
ನಿನ್ನ ಕಾರ್ಯವನ್ನು ಪೂರ್ಣವಾಗಿ ವಿಚರಿಸುತ್ತೇನೆ ಎಂದು ಹೇಳಿ ಅವನನ್ನು ಹೆರೋದನ
ಅರಮನೆಯಲ್ಲಿ ಇಟ್ಟು ಕಾಯಬೇಕೆಂಬದಾಗಿ ಅಪ್ಪಣೆಮಾಡಿದನು.

## ಫೇಲಿಕ್ಸನ ಮುಂದೆ ನಡೆದ ನ್ಯಾಯವಿಚಾರಣೆ

೨೪ ೧ ಐದು ದಿವಸಗಳಾದ ಮೇಲೆ ಮಹಾಯಾಜಕನಾದ ಅನನೀಯನು ಸಭೇಹಿರಿಯರಲ್ಲಿ
ಕೆಲವರನ್ನೂ ತೆರ್ತುಲ್ಲನೆಂಬ ಒಬ್ಬ ವಕೀಲನನ್ನೂ ಕರೆದುಕೊಂಡು ಬಂದು ಪೌಲನ ಮೇಲೆ
ದೇಶಾಧಿಪತಿಗೆ ಫಿರಿಯಾದೆ ಹೇಳಿದನು. ೨ ಪೌಲನನ್ನು ಕರೆಯಿಸಿದನಂತರ ತೆರ್ತುಲ್ಲನು ಅವನ
ಮೇಲೆ ತಪ್ಪುಹೊರಿಸುವದಕ್ಕೆ ಪ್ರಾರಂಭಿಸಿ ಹೇಗಂದನು — ಶ್ರೀಮತ್ ಮಹಾ ಫೇಲಿಕ್ಸನೇ, ನಿನ್ನ
ಮೂಲಕವಾಗಿ ನಮಗೆ ಬಹು ಸಮಾಧಾನ ಉಂಟಾಗುವದರಿಂದಲೂ ನಿನ್ನ ಪರಾಮರಿಕೆಯಿಂದ ಈ
ದೇಶದ ಜನರಿಗೆ ಎಲ್ಲಾ ವಿಧದಲ್ಲಿಯೂ ಎಲ್ಲಾ ಸ್ಥಳದಲ್ಲಿಯೂ ಸುಧಾರಣೆಗಳು ಆಗುವದರಿಂದಲೂ
೩ ನಾವು ಈ ಉಪಕಾರಗಳನ್ನು ಕೃತ್ಜ್ಞತೆಯಿಂದ ಒಪ್ಪಿಕೊಳ್ಳುತ್ತೇವೆ. ೪ ಆದರೆ ನಿನ್ನನ್ನು
ಹೆಚ್ಚಾಗಿ ಬೇಸರಗೊಳಿಸುವದಕ್ಕೆ ಮನಸ್ಸಿಲ್ಲದೆ ನಾವು ಸಂಕ್ಷೇಪವಾಗಿ ಹೇಳುವ ಮಾತುಗಳನ್ನು
ದಯೆಯಿಂದ ಲಾಲಿಸಬೇಕೆಂದು ಬೇಡಿಕೊಳ್ಳುತ್ತೇನೆ. ೫ ಈ ಮನುಷ್ಯನನ್ನು ಪೀಡೆಯಂತಿದ್ದು
ಲೋಕದಲ್ಲಿ ಎಲ್ಲೆಲ್ಲಿಯೂ ಇರುವ ಎಲ್ಲಾ ಯೆಹೂದ್ಯರಲ್ಲಿ ದಂಗೆಯನ್ನು ಎಬ್ಬಿಸುವವನೆಂತಲೂ
ನಜರೇತಿನವರ ಪಾಷಂಡಮತದಲ್ಲಿ ಪ್ರಮುಖನೆಂತಲೂ ಕಂಡೆವು. ೬ ಇದಲ್ಲದೆ ಇವನು
ದೇವಾಲಯವನ್ನು ಹೊಲೆಮಾಡುವದಕ್ಕೆ ಪ್ರಯತ್ನಮಾಡಿದನು; ಆದಕಾರಣ ಇವನನ್ನು ನಾವು
ಹಿಡಿದೆವು. ೭ ೮ ಇವನನ್ನು ನೀನೇ ವಿಚಾರಿಸಿದರೆ ನಾವು ಇವನ ಮೇಲೆ ಹೊರಿಸುವ ಈ
ತಪ್ಪುಗಳೆಲ್ಲಾ ನಿಜವೋ ಸುಳ್ಳೋ ಇವನಿಂದಲೇ ತಿಳಿದುಕೊಳ್ಳಬಹುದು ಎಂದು ಹೇಳಿದನು.
೯ ◌ಾಗ ಯೆಹೂದ್ಯರು ಈ ಸಂಗತಿಗಳು ನಿಜವೇ ಎಂದು ಹೇಳಿ ತಾವೂ ಆ ದೋಷಾರೋಪಣೆ
ಮಾಡುವದರಲ್ಲಿ ಸೇರಿದರು.
೧೦ ದೇಶಾಧಿಪತಿಯು ಪೌಲನಿಗೆ — ನೀನು ಮಾತಾಡಬಹುದೆಂದು ಸನ್ನೆ ಮಾಡಲು ಅವನು
ಪ್ರತ್ಯುತ್ತರವನ್ನು ಹೇಳಿದ್ದೇನಂದರೆ— /ನೀನು ಅನೇಕ ವರುಷಗಳಿಂದ ಈ ದೇಶದ ಜನರಿಗೆ
ನ್ಯಾಯಾಧಿಪತಿಯಾಗಿರುತ್ತೀ ಎಂದು ತಿಳಿದು ನಾನು ಧೈರ್ಯವಾಗಿ ಪ್ರತಿವಾದ ಮಾಡುತ್ತೇನೆ.
೧೧ ನಾನು ದೇವಾರಾಧನೆಮಾಡುವದಕ್ಕೆ ಯೆರೂಸಲೇಮಿಗೆ ಹೋಗಿ ಹನ್ನೆರಡು ದಿವಸ
ಮಾತ್ರವಾಯಿತೆಂದು ನೀನು ತಿಳಿದುಕೊಳ್ಳಬಹುದು. ೧೨ ಅಲ್ಲಿ ದೇವಾಲಯದಲ್ಲಾಗಲಿ
ಸಭಾಮಂದಿರಗಳಲ್ಲಾಗಲಿ ಪಟ್ಟಣಲ್ಲಾಗಲಿ ನಾನು ಯಾರ ಸಂಗಡಲಾದರೂ ವಾದಿಸುವದನ್ನು
ಇಲ್ಲವೆ ಜನರ ಗುಂಪು ಕೂಡಿಸುವದನ್ನು ಇವರು ಕಾಣಲಿಲ್ಲ. ೧೩ ಇದಲ್ಲದೆ ಇವರು ಈಗ ನನ್ನ
ಮೇಲೆ ಹೊರಿಸುವ ತಪ್ಪುಗಳನ್ನು ನಿಜವೆಂದು ನಿನಗೆ ತೋರಿಸಲಾರರು. ೧೪ ಒಂದನ್ನು
ಮಾತ್ರ ನಿನ್ನ ಮುಂದೆ ಒಪ್ಪಿಕೊಳ್ಳುತ್ತೇನೆ, ಅದೇನಂದರೆ — ಇವರು ಪಾಷಂಡಮತವೆಂದು
ಹೇಳುವ ಮಾರ್ಗಕ್ಕನುಸಾರವಾಗಿ ನಾನು ನಮ್ಮ ಪಿತೃಗಳ ದೇವರನ್ನು ಸೇವಿಸುವವನಾಗಿದ್ದೇನೆ.
ಧರ್ಮಶಾಸ್ತ್ರಕ್ಕನುಗುಣವಾಗಿರುವ ಮತ್ತು ಪ್ರವಾದಿಗಳ ಗ್ರಂಥಗಳಲ್ಲಿ ಬರೆದಿರುವ ಎಲ್ಲಾ
ವಿಷಯಗಳನ್ನು ನಂಬುತ್ತೇನೆ. ೧೫ ಇದಲ್ಲದೆ ನೀತಿವಂತರಿಗೂ ಅನೀತಿವಂತರಿಗೂ
ಪುನರುತ್ಥಾನವಾಗುವದೆಂದು ಇವರು ದೇವರಲ್ಲಿ ನಿರೀಕ್ಷೆಯಿಟ್ಟಿರುವ ಪ್ರಕಾರವೇ ನಾನೂ
ನಿರೀಕ್ಷೆಯುಳ್ಳವನಾಗಿದ್ದೇನೆ; ೧೬ ಇದರ ದೆಸೆಯಿಂದ ದೇವರ ವಿಷಯದಲ್ಲಿಯೂ ಮನುಷ್ಯರ
ವಿಷಯದಲ್ಲಿಯೂ ನಾನು ನಿರ್ದೋಷಿ ಎಂದು ಸಾಕ್ಷಿ ಹೇಳುವ ಮನಸ್ಸು ನನಗೆ ಯಾವಾಗಲೂ
ಇರಬೇಕೆಂದು ಅಭ್ಯಾಸಮಾಡಿಕೊಳ್ಳುತ್ತೇನೆ. ೧೭ ಕೆಲವು ವರುಷಗಳಾದಮೇಲೆ ನಾನು ನನ್ನ
ಸ್ವದೇಶದವರಿಗೆ ಧರ್ಮದ್ರವ್ಯಗಳನ್ನು ತರುವದಕ್ಕೂ ಕಾಣಿಕೆಗಳನ್ನು ಒಪ್ಪಿಸುವದಕ್ಕೂ ಬಂದೆನು.
೧೮ ನಾನು ಶುದ್ಧಮಾಡಿಕೊಂಡವನಾಗಿ ಅವುಗಳನ್ನು ಒಪ್ಪಿಸುತ್ತಿರುವಲ್ಲಿ ನನ್ನನ್ನು ದೇವಾಲಯದಲ್ಲಿ
ಕಂಡರು; ನನ್ನ ಬಳಿಯಲ್ಲಿ ಜನರ ಗುಂಪು ಇರಲಿಲ್ಲ, ಗದ್ದಲವೂ ಇರಲಿಲ್ಲ. ೧೯ ನನ್ನನ್ನು ಕಂಡವರು
ಆಸ್ಯಸೀಮೆಯಿಂದ ಬಂದ ಕೆಲವು ಯೆಹೂದ್ಯರೇ; ನನ್ನ ಮೇಲೆ ಅವರಿಗೆ ಏನಾದರೂ ಇದ್ದರೆ
ತಾವೇ ನಿನ್ನ ಮುಂದೆ ತಪ್ಪುಹೊರಿಸುವದಕ್ಕೆ ಇಲ್ಲಿ ಬರಬೇಕಾಗಿತ್ತು. ೨೦ ಇಲ್ಲವಾದ್ದರಿಂದ ನಾನು
ಹಿರೀಸಭೆಯ ಎದುರಿನಲ್ಲಿ ನಿಂತಿದ್ದಾಗ ನನ್ನಲ್ಲಿ ಅಕ್ರಮವನ್ನೇನಾದರೂ ಕಂಡಿದ್ದರೆ ಇವರೇ
ಹೇಳಲಿ. ೨೧ ನಾನು ಇವರ ನಡುವೆ ನಿಂತು — ಪುನರುತ್ಥಾನದ ವಿಷಯದಲ್ಲಿ ಈಹೊತ್ತು ನಿಮ್ಮಿಂದ
ನನಗೆ ವಿಚಾರಣೆಯಾಗುತ್ತದೆ ಎಂದು ಕೂಗಿದ್ದನ್ನೇ ಹೊರತು ಬೇರೆ ಏನೂ ಹೇಳಲಾರರು
ಅಂದನು.
೨೨ ಫೇಲಿಕ್ಸನು ಕ್ರಿಸ್ತ ಮಾರ್ಗವನ್ನು ತಕ್ಕ ಮಟ್ಟಿಗೆ ತಿಳಿದವನಾದರೂ ಅವರಿಗೆ —
ಸಹಸ್ರಾಧಿಪತಿಯಾದ ಲೂಸ್ಯನು ಬಂದ ಮೇಲೆ ನಿಮ್ಮ ಕಾರ್ಯವನ್ನು ತೀರ್ಮಾನಿಸುತ್ತೇನೆಂದು
ಹೇಳಿ ವಿಚಾರಣೆಯನ್ನು ತಡೆಮಾಡಿದನು. ೨೩ ಆಗ ಅವನು ಶತಾಧಿಪತಿಗೆ — ಪೌಲನು

ಕಾವಲಲ್ಲಿರಬೇಕು, ಆದರೆ ಅವನು ಬಿಡುವಾಗಿರಲಿ, ಅವನನ್ನು ಉಪಚರಿಸುವದಕ್ಕೆ ಅವನ ಸ್ವಂತ
ಜನರಲ್ಲಿ ಯಾರಿಗೂ ಅಡ್ಡಿಮಾಡಬಬಾರದೆಂದು ಅಪ್ಪಣೆಮಾಡಿದನು.

### ಪೌಲನು ಎರಡು ವರುಷ ಕಾವಲಲ್ಲಿದ್ದದ್ದು; ಅವನು ಪ್ರಸ್ತಾಪಿಸಿದ್ದನ್ನು ಫೇಲಿಕ್ಸನು ಕೇಳಿ ಮನಸ್ಸಿನಲ್ಲಿ ದಿಗಿಲುಬಿದ್ದದ್ದು.

೨೪ ಕೆಲವು ದಿವಸಗಳಾದ ಮೇಲೆ ಫೇಲಿಕ್ಸನು ಯೆಹೂದ್ಯಳಾದ ದ್ರೂಸಿಲ್ಲಳೆಂಬ ಸ್ವಂತ
ಹೆಂಡತಿಯೊಂದಿಗೆ ಬಂದು ಪೌಲನನ್ನು ಕರಿಸಿಕೊಂಡು ಕ್ರಿಸ್ತಯೇಸುವಿನಲ್ಲಿಡತಕ್ಕ ನಂಬಿಕೆಯ
ವಿಷಯವಾಗಿ ಅವನು ಹೇಳಿದ ಮಾತುಗಳನ್ನು ಕೇಳಿದನು. ೨೫ ಪೌಲನು ಸುನೀತಿ ದಮೆಮುಂದಣ
ನ್ಯಾಯವಿಚಾರಣೆ ಇವುಗಳ ವಿಷಯವಾಗಿ ಪ್ರಸ್ತಾಪಿಸುತ್ತಿದ್ದಾಗ ಫೇಲಿಕ್ಸನು ಭಯಗ್ರಸ್ತನಾಗಿ
ಅವನಿಗೆ — ಸದ್ಯಕ್ಕೆ ಹೋಗು; ಸಮಯ ದೊರಕಿದಾಗ ನಿನ್ನನ್ನು ಕರಿಸುವೆನು ಎಂದು ಹೇಳಿದನು.
೨೬ ಇದಲ್ಲದೆ ತನಗೆ ಪೌಲನಿಂದ ಹಣ ಸಿಕ್ಕೀತೆಂಬ ನಿರೀಕ್ಷೆ ಅವನಿಗಿದ್ದ ಕಾರಣ ಅವನನ್ನು
ಬಾರಿಬಾರಿಗೂ ಕರಿಸಿ ಅವನ ಸಂಗಡ ಸಲ್ಲಾಪಮಾಡುತ್ತಿದ್ದನು. ೨೭ ಎರಡು ವರುಷಗಳು ತುಂಬಿದ
ಮೇಲೆ ಫೇಲಿಕ್ಸನ ಸ್ಥಾನಕ್ಕೆ ಪೋರ್ಕಿಯ ಫೆಸ್ತನು ಬಂದನು. ಫೇಲಿಕ್ಸನು ಯೆಹೂದ್ಯರ
ಪ್ರೀತಿಯನ್ನು ಸಂಪಾದಿಸಬೇಕೆಂಬ ಕೋರಿಕೆಯಿಂದ ಪೌಲನನ್ನು ಹಾಗೆಯೇ ಸೆರೆಯಲ್ಲಿ
ಬಿಟ್ಟುಹೋದನು.

### ದೇಶಾಧಿಪತಿಯಾದ ಫೆಸ್ತನು ಪೌಲನನ್ನು ತೀರ್ಪಿಗೆ ಯೆರೂಸಲೇಮಿಗೆ ಕಳುಹಿಸಬೇಕೆಂದಿದ್ದಾಗ ಪೌಲನು ಚಕ್ರವರ್ತಿಗೆ ಅಪ್ಪೀಲ್ ಮಾಡಿದ್ದು

೨೫ ೧ ಫೆಸ್ತನು ಸೀಮೆಯ ಕಾರ್ಯಭಾರವನ್ನು ವಹಿಸಿಕೊಂಡು ಮೂರು ದಿವಸಗಳ ತರುವಾಯ
ಕೈಸರೈಯದಿಂದ ಯೆರೂಸಲೇಮಿಗೆ ಹೋದನು. ೨ ಅಲ್ಲಿ ಮಹಾಯಾಜಕನೂ
ಯೆಹೂದ್ಯರಲ್ಲಿ ಪ್ರಮುಖರೂ ಅವನಿಗೆ ಪೌಲನ ಮೇಲಣ ಫಿರ್ಯಾದಿಯನ್ನು ಹೇಳಿ —
೩ ನೀನು ದಯಮಾಡಿ ಅವನನ್ನು ಯೆರೂಸಲೇಮಿಗೆ ಕರತರಿಸಬೇಕೆಂದು ಪೌಲನು ಕೇಡಿಗಾಗಿ
ಬಿನ್ನಹವನ್ನು ಮಾಡಿದರು. ಮಾರ್ಗದಲ್ಲಿ ಅವನನ್ನು ಕೊಲ್ಲುವದಕ್ಕಾಗಿ ಹೊಂಚುಹಾಕಿಕೊಂಡಿದ್ದರು.
೪ ಫೆಸ್ತನು ಅವರಿಗೆ — ಪೌಲನು ಕೈಸರೈಯದಲ್ಲಿ ಕಾವಲೊಳಗಿದ್ದಾನೆ, ನಾನೇ ಬೇಗ ಅಲ್ಲಿಗೆ
ಹೊರಟುಹೋಗಬೇಕೆಂದಿದ್ದೇನೆ; ೫ ಆದಕಾರಣ ನಿಮ್ಮಲ್ಲಿ ಪ್ರಮುಖರು ನನ್ನೊಂದಿಗೆ ಬಂದು
ಆ ಮನುಷ್ಯನಲ್ಲಿ ಅನುಚಿತವಾದದ್ದೇನಾದರೂ ಇದ್ದರೆ ಅವನ ಮೇಲೆ ತಪ್ಪುಹೊರಿಸಲಿ ಎಂದು
ಹೇಳಿದನು.

೬ ಅವನು ಅವರಲ್ಲಿ ಎಂಟು ಹತ್ತಕ್ಕಿಂತ ಹೆಚ್ಚು ದಿವಸಗಳು ನಿಲ್ಲದೆ ಕೈಸರೈಯಕ್ಕೆ ಹೋಗಿ
ಮರುದಿನ ನ್ಯಾಯಸ್ಥಾನದಲ್ಲಿ ಕೂತುಕೊಂಡು ಪೌಲನನ್ನು ತರಬೇಕೆಂದು ಅಪ್ಪಣೆಮಾಡಿದನು.
೭ ಅವನು ಬಂದ ಮೇಲೆ ಯೆರೂಸಲೇಮಿನಿಂದ ಬಂದಿದ್ದ ಯೆಹೂದ್ಯರು ಅವನ ಸುತ್ತಲು
ನಿಂತುಕೊಂಡು ತಾವು ಸ್ಥಾಪಿಸಲಾರದ ಅನೇಕ ದೊಡ್ಡ ದೊಡ್ಡ ತಪ್ಪುಗಳನ್ನು ಹೊರಿಸುತ್ತಿರಲು
೮ ಪೌಲನು — ಯೆಹೂದ್ಯರ ಧರ್ಮಶಾಸ್ತ್ರದ ವಿಷಯದಲ್ಲಾಗಲಿ ದೇವಾಲಯದ ವಿಷಯದಲ್ಲಾಗಲಿ
ಚಕ್ರವರ್ತಿಯ ವಿಷಯದಲ್ಲಾಗಲಿ ನಾನು ಯಾವ ತಪ್ಪನ್ನೂ ಮಾಡಲಿಲ್ಲವೆಂದು ಪ್ರತ್ಯುತ್ತರ
ಹೇಳಿದನು. ೯ ಫೆಸ್ತನು ಯೆಹೂದ್ಯರ ಪ್ರೀತಿಯನ್ನು ಸಂಪಾದಿಸಿಕೊಳ್ಳಬೇಕೆಂದು, ಅಪೇಕ್ಷಿಸಿ
ಪೌಲನನ್ನು — ನೀನು ಯೆರೂಸಲೇಮಿಗೆ ಹೋಗಿ ಅಲ್ಲಿ ಈ ಕಾರ್ಯಗಳ ವಿಷಯವಾಗಿ ನನ್ನ
ಮುಂದೆ ವಿಚಾರಿಸಲ್ಪಡುವದಕ್ಕೆ ನಿನಗೆ ಇಷ್ಟವುಂಟೋ? ಎಂದು ಕೇಳಲು ಪೌಲನು— ೧೦ ನಾನು
ಚಕ್ರವರ್ತಿಯ ನ್ಯಾಯಸ್ಥಾನದ ಮುಂದೆ ನಿಂತಿದ್ದೇನೆ; ಇಲ್ಲಿಯೇ ನನ್ನ ವಿಚಾರಣೆಯಾಗತಕ್ಕದ್ದು.
ಯೆಹೂದ್ಯರಿಗೆ ನಾನು ಅನ್ಯಾಯವೇನೂ ಮಾಡಲಿಲ್ಲ; ಅದು ನಿನಗೂ ಚೆನ್ನಾಗಿ ತಿಳಿದೇ
ಇದೆ. ೧೧ ನಾನು ಅನ್ಯಾಯ ಮಾಡಿದವನಾಗಿ ಮರಣದಂಡನೆಗೆ ಕಾರಣವಾದ ಯಾವದನ್ನಾದರೂ
ನಡಿಸಿದ್ದಾದರೆ ಮರಣ ದಂಡನೆಯನ್ನು ಬೇಡವೆನ್ನುವದಿಲ್ಲ. ಇವರು ನನ್ನ ಮೇಲೆ ಹೊರಿಸುವ
ತಪ್ಪುಗಳಲ್ಲಿ ಒಂದೂ ನಿಜವಲ್ಲದ ಮೇಲೆ ಇವರ ಮೇಲಣ ದಯೆಯಿಂದ ನನ್ನನ್ನು ಒಪ್ಪಿಸಿ
ಕೊಡುವದಕ್ಕೆ ಒಬ್ಬರಿಗೂ ಅಧಿಕಾರವಿಲ್ಲ. ನಾನು ಚಕ್ರವರ್ತಿಯ ಎದುರಿನಲ್ಲಿ ಹೇಳಿಕೊಳ್ಳುತ್ತೇನೆ
ಎನಲು ೧೨ ಫೆಸ್ತನು ತನ್ನ ಸಭೆಯವರ ಸಂಗಡ ಆಲೋಚನೆಮಾಡಿದಮೇಲೆ ಪೌಲನಿಗೆ —
ಚಕ್ರವರ್ತಿಯ ಎದುರಿನಲ್ಲಿ ಹೇಳಿ ಕೊಳ್ಳುತ್ತೇನೆ ಅಂದಿಯಲ್ಲಾ, ಚಕ್ರವರ್ತಿಯ ಬಳಿಗೆ
ಹೋಗಬೇಕು ಎಂದು ಹೇಳಿದನು.

### ಫೆಸ್ತನು ಅಗ್ರಿಪ್ಪರಾಜನಿಗೆ ಪೌಲನ ಸಂಗತಿಯನ್ನು ತಿಳಿಸಿದಮೇಲೆ ಪೌಲನು ಅವರಿಬ್ಬರ ಮುಂದೆ ಪ್ರತಿವಾದ ಮಾಡಿದ್ದು

೧೩ ಕೆಲವು ದಿವಸಗಳು ಗತಿಸಿದನಂತರ ಅಗ್ರಿಪ್ಪರಾಜನೂ ಬೆರ್ನಿಕೆರಾಣಿಯೂ ಫೆಸ್ತನ
ದರ್ಶನಮಾಡಿಕೊಳ್ಳುವದಕ್ಕೆ ಕೈಸರೈಯಕ್ಕೆ ಬಂದರು. ೧೪ ಅವರು ಅನೇಕ ದಿವಸ ಅಲ್ಲಿ
ನಿಂತಿರಲಾಗಿ ಫೆಸ್ತನು ಪೌಲನ ಸಂಗತಿಯನ್ನು ರಾಜನಿಗೆ ತಿಳಿಸಿ ಹೇಳಿದ್ದೇನಂದರೆ —
ಫೇಲಿಕ್ಸನು ಬಿಟ್ಟುಹೋದ ಒಬ್ಬ ಸೆರೆಯವನು ಇದ್ದಾನೆ. ೧೫ ನಾನು ಯೆರೂಸಲೇಮಿನಲ್ಲಿದ್ದಾಗ
ಯೆಹೂದ್ಯರ ಮಹಾಯಾಜಕರೂ ಸಭೇಹಿರಿಯರೂ ಅವನ ವಿಷಯವಾಗಿ ನನಗೆ ಫಿರ್ಯಾದಿ
ಹೇಳಿ ಅವನಿಗೆ ವಿರುದ್ಧವಾಗಿ ತೀರ್ಪು ಆಗಬೇಕೆಂದು ಬೇಡಿಕೊಂಡರು. ೧೬ ನಾನು ಅವರಿಗೆ
— ಪ್ರತಿವಾದಿಯು ವಾದಿಗಳಿಗೆ ಮುಖಾಮುಖಿಯಾಗಿ ನಿಂತು ತನ್ನ ಮೇಲೆ ಆರೋಪಿಸಿದ
ದೋಷವಿಷಯದಲ್ಲಿ ಪ್ರತಿವಾದಮಾಡುವದಕ್ಕೆ ಆಸ್ಪದಕೊಂಡದೆ ಅವನನ್ನು ಒಪ್ಪಿಸಿಬಿಡುವದು
ರೋಮಾಯರ ಪದ್ಧತಿಯಲ್ಲವೆಂದು ಹೇಳಿದೆನು. ೧೭ ಅವರು ಇಲ್ಲಿಗೆ ಕೂಡಿಬಂದಾಗ ನಾನು
ಸ್ವಲ್ಪವಾದರೂ ತಡಮಾಡದೆ ಮರುದಿನವೇ ನ್ಯಾಯಸ್ಥಾನದ ಮೇಲೆ ಕೂತುಕೊಂಡು ಆ
ಮನುಷ್ಯನನ್ನು ತರಬೇಕೆಂದು ಅಪ್ಪಣೆಕೊಟ್ಟೆನು. ೧೮ ತಪ್ಪು ಹೊರಿಸುವವರು ನಿಂತುಕೊಂಡು
ನಾನು ಭಾವಿಸಿದ್ದ ಅಪರಾಧಗಳನ್ನು ಒಂದನ್ನಾದರೂ ಅವನ ಮೇಲೆ ಹೊರಿಸದೆ ೧೯ ಅವರ
ಮತದ ವಿಷಯದಲ್ಲಿಯೂ ಸತ್ತುಹೋದಂಥ ಯೇಸುವೆಂಬ ಒಬ್ಬನ ವಿಷಯದಲ್ಲಿಯೂ ಅವನ
ಮೇಲೆ ಕೆಲವು ವಿವಾದದ ಮಾತುಗಳನ್ನು ತಂದರು. ಆ ಯೇಸು ಜೀವಿತನಾಗಿದ್ದಾನೆಂದು ಪೌಲನು
ಹೇಳೀದನು. ೨೦ ಇಂಥ ಕಾರ್ಯಗಳನ್ನು ಹೇಗೆ ವಿಚಾರಣೆಮಾಡಬೇಕೋ ನನಗೆ ತೋರದೆ —
ನೀನು ಯೆರೂಸಲೇಮಿಗೆ ಹೋಗಿ ಅಲ್ಲಿ ಇವುಗಳ ವಿಷಯವಾಗಿ ವಿಚಾರಣೆಹೊಂದುವದಕ್ಕೆ
ನಿನಗೆ ಮನಸ್ಸುಂಟೋ? ೨೧ ಎಂದು ನಾನು ಕೇಳಲು ಪೌಲನು ಚಕ್ರವರ್ತಿಯ ಎದುರಿನಲ್ಲಿ
ಹೇಳಿಕೊಳ್ಳುವ ಪರ್ಯಂತರ ತನ್ನನ್ನು ಕಾಯಬೇಕೆಂದು ಕೇಳಿಕೊಂಡಾಗ ನಾನು ಚಕ್ರವರ್ತಿಯ
ಬಳಿಗೆ ಕಳುಹಿಸುವ ತನಕ ಅವನನ್ನು ಕಾಯುವದಕ್ಕೆ ಅಪ್ಪಣೆಕೊಟ್ಟನು ಎಂದು ಹೇಳಿದನು.
೨೨ ಅದಕ್ಕೆ ಅಗ್ರಿಪ್ಪನು — ಆ ಮನುಷ್ಯನು ಹೇಳಿಕೊಳ್ಳುವದನ್ನು ಕೇಳುವದಕ್ಕೆ ನನಗೂ ಮನಸ್ಸದೆ
ಎಂದು ಹೇಳಲು ಫೆಸ್ತನು — ನಾಳೆ ಕೇಳಬಹುದು ಅಂದನು.

೨೩ ಮರುದಿನ ಅಗ್ರಿಪ್ಪರಾಜನೂ ಬೆರ್ನಿಕೆರಾಣಿಯೂ ಬಹು ಆಡಂಬರದಿಂದ ಬಂದು
ಸಹಸ್ರಾಧಿಪತಿಗಳ ಮತ್ತು ಪಟ್ಟಣದ ಮುಖಂಡರ ಸಂಗಡ ಸಭಾಸ್ಥಾನದೊಳಗೆ ಸೇರಿದಾಗ
ಫೆಸ್ತನು ಅಪ್ಪಣೆಕೊಡಲು ಪೌಲನನ್ನು ಕರತಂದರು. ೨೪ ಆಗ ಫೆಸ್ತನು — ಅಗ್ರಿಪ್ಪರಾಜನೇ,
ನಮ್ಮ ಸಂಗಡ ಕೂಡಿಬಂದಿರುವ ಎಲ್ಲಾ ಜನರೇ, ಈ ಮನುಷ್ಯನನ್ನು ನೋಡುತ್ತೀರಲ್ಲಾ, ಇವನ
ವಿಷಯದಲ್ಲಿ ಯೆಹೂದ್ಯರೆಲ್ಲರೂ - ಇವನು ಇನ್ನು ಮೇಲೆ ಬದುಕಬಾರದೆಂದು ಕೂಗುತ್ತಾ
ಯೆರೂಸಲೇಮಿನಲ್ಲಿಯೂ ಇಲ್ಲಿಯೂ ನನ್ನನ್ನು ಬೇಡಿಕೊಂಡರು. ೨೫ ಇವನು ಮರಣ
ದಂಡನೆಗೆ ಕಾರಣವಾದದ್ದೇನೂ ಮಾಡಲಿಲ್ಲವೆಂದು ನನಗೆ ಕಂಡುಬಂತು. ತಾನೇ ಚಕ್ರವರ್ತಿಗೆ
ವಿಜ್ಞಾಪನೆಮಾಡಿಕೊಂಡದ್ದರಿಂದ ಇವನನ್ನು ಕಳುಹಿಸುವದಕ್ಕೆ ತೀರ್ಮಾನಿಸಿದೆನು.
೨೬ ಇವನ ವಿಷಯದಲ್ಲಿ ಮಹಾಸನ್ನಿಧಾನಕ್ಕೆ ಬರೆಯುವದಕ್ಕೆ ನಿಶ್ಚಯವಾದದ್ದೇನೂ
ಇಲ್ಲ. ಸೆರೆಯವನ ಮೇಲೆ ಆರೋಪಿಸಿರುವ ದೋಷಗಳನ್ನು ಸೂಚಿಸದೆ ಅವನನ್ನು
ಕಳುಹಿಸುವದು ಯುಕ್ತವಲ್ಲವೆಂದು ನನಗೆ ತೋರುತ್ತದೆ. ೨೭ ಆದದರಿಂದ ವಿಚಾರಣೆಯಾದ
ಮೇಲೆ ಬರೆಯುವದಕ್ಕೆ ಏನಾದರೂ ಸಿಕ್ಕೀತೆಂದು ಇವನನ್ನು ನಿಮ್ಮ ಮುಂದೆ ಮುಖ್ಯವಾಗಿ
ಅಗ್ರಿಪ್ಪರಾಜನೇ ನಿನ್ನ ಮುಂದೆ ಕರೆಯಿಸಿದ್ದೇನೆ ಅಂದನು.

೨೬ ೧ ಆಗ ಅಗ್ರಿಪ್ಪನು ಪೌಲನಿಗೆ — ನೀನು ನಿನ್ನ ಪಕ್ಷದಲ್ಲಿ ಮಾತಾಡಬಹುದು ಅನ್ನಲು ಪೌಲನು
ಕೈಯೆತ್ತಿ ಪ್ರತಿವಾದ ಮಾಡಿದ್ದೇನಂದರೆ —
೨ ಅಗ್ರಿಪ್ಪರಾಜನೇ, ಯೆಹೂದ್ಯರು ನನ್ನ ಮೇಲೆ ಆರೋಪಿಸುವ ಎಲ್ಲಾ ದೋಷಗಳ
ವಿಷಯವಾಗಿ ನಿನ್ನ ಎದುರಿನಲ್ಲಿ ನಾನು ಈಹೊತ್ತು ಪ್ರತಿವಾದ ಮಾಡಬೇಕಾಗಿರುವದರಿಂದ
ನನ್ನನ್ನು ಧನ್ಯನೆಂದು ಎಣಿಸಿಕೊಳ್ಳುತ್ತೇನೆ. ೩ ಯಾಕಂದರೆ ಯೆಹೂದ್ಯರಲ್ಲಿರುವ ಎಲ್ಲಾ
ಆಚಾರಗಳನ್ನೂ ವಿವಾದಗಳನ್ನೂ ನೀನು ಚೆನ್ನಾಗಿ ಬಲ್ಲವನಾಗಿರುತ್ತೀ. ನನ್ನ ಮಾತುಗಳನ್ನು
ಸಹಸದಿಂದ ಕೇಳಬೇಕೆಂದು ಬೇಡಿಕೊಳ್ಳುತ್ತೇನೆ. ೪ ನಾನು ಮೊದಲಿಂದಲೂ
ಯೆರೂಸಲೇಮಿನಲ್ಲಿ ನನ್ನ ದೇಶದ ಜನರೊಳಗಿದ್ದುಕೊಂಡು ಬಾಲ್ಯದಿಂದ ಬದುಕಿದ
ಬಗೆಯು ಎಲ್ಲಾ ಯೆಹೂದ್ಯರಿಗೆ ತಿಳಿದೇ ಅದೆ; ೫ ನಮ್ಮ ಧರ್ಮದಲ್ಲಿ ಬಹು ಖಂಡಿತವಾದ

ಮತವನ್ನನುಸರಿಸಿ ಫರಿಸಾಯನಾಗಿ ನಡಕೊಂಡೆನೆಂದು ಪ್ರಾರಂಭದಿಂದಲೂ ಅವರು
ಬಲ್ಲರು; ಸಾಕ್ಷಿ ಹೇಳುವದಕ್ಕೆ ಅವರಿಗ ಎಮನಸ್ಸಿದ್ದರೆ ಹೇಳಬಹುದು. ೬ ಈಗಲೂ ದೇವರು
ನಮ್ಮ ಪಿತೃಗಳಿಗೆ ಮಾಡಿದ ವಾಗ್ದಾನವು ನೆರವೇರುವದೆಂಬ ನಿರೀಕ್ಷೆಯನ್ನು ಕುರಿತೇ
ವಿಚಾರಿಸಲ್ಪಡುವವನಾಗಿ ಇಲ್ಲಿ ನಿಂತಿದ್ದೇನೆ. ೭ ನಮ್ಮ ಹನ್ನೆರಡು ಕುಲದವರು ಹಗಲಿರುಳು
ಆಸಕ್ತಿಯಿಂದ ದೇವರನ್ನು ಸೇವಿಸುತ್ತಾ ಆ ವಾಗ್ದಾನದ ಫಲವನ್ನು ಹೊಂದುವದಕ್ಕೆ ನಿರೀಕ್ಷಿಸುತ್ತಾ
ಇದ್ದಾರೆ. ರಾಜಾ, ಆ ನಿರೀಕ್ಷೆಯ ವಿಷಯದಲ್ಲಿಯೇ ಯೆಹೂದ್ಯರು ನನ್ನ ಮೇಲೆ
ದೋಷಾರೋಪಣೆಮಾಡುತ್ತಾರೆ. ೮ ದೇವರು ಸತ್ತವರನ್ನು ಎಬ್ಬಿಸಿದ್ದು ನಂಬತಕ್ಕದ್ದಲ್ಲವೆಂದು ನೀವು
ಯಾಕೆ ತೀರ್ಮಾನಿಸುತ್ತೀರಿ? ೯ ನಜರೇತಿನ ಯೇಸುವಿನ ಹೆಸರಿಗೆ ವಿರುದ್ಧವಾಗಿ ಅನೇಕ
ಕಾರ್ಯಗಳನ್ನು ನಡೆಸಬೇಕೆಂದು ನಾನೂ ಯೋಚಿಸಿಕೊಂಡಿದ್ದೆನು. ೧೦ ಯೆರೂಸಲೇಮಿನಲ್ಲಿ
ಹಾಗೆಯೇ ನಡೆಸಿದೆನು. ಮಹಾಯಾಜಕರಿಂದ ಅಧಿಕಾರವನ್ನು ಪಡೆದು ದೇವಜನರಲ್ಲಿ
ಅನೇಕರನ್ನು ಸೆರೆಮನೆಗಳಲ್ಲಿ ಇಡಿಸಿ ಅವರಿಗೆ ಮರಣದ ತೀರ್ಪಾದಾಗ ನನ್ನ ಸಮ್ಮತಿಯನ್ನು
ಸೂಚಿಸಿದೆನು. ೧೧ ಎಲ್ಲಾ ಸಭಾಮಂದಿರಗಳಲ್ಲಿಯೂ ನಾನು ಅನೇಕಾವರ್ತಿ ಅವರನ್ನು ದಂಡಿಸಿ
ಅವರಿಂದ ದೂಷಣೆಯ ಮಾತುಗಳನ್ನಾಡಿಸುವದಕ್ಕೆ ಪ್ರಯತ್ನಿಸಿದೆನು. ಇದಲ್ಲದೆ ಅವರ ಮೇಲೆ
ಬಹು ಕೋಪಾವೇಶವುಳ್ಳವನಾಗಿ ಪರಪಟ್ಟಣಗಳ ತನಕ ಅವರನ್ನು ಹಿಂಸೆಪಡಿಸಿದೆನು. ೧೨ ಈ
ಉದ್ದೇಶದಿಂದ ನಾನು ಮಹಾಯಾಜಕರಿಂದ ಅಧಿಕಾರವನ್ನೂ ಉದ್ಯೋಗವನ್ನೂ ಹೊಂದಿ
ದಮಸ್ಕಕ್ಕೆ ಹೋಗುತ್ತಾ ನಾನು ದಾರಿಯಲ್ಲಿದ್ದಾಗ ರಾಜನೇ, ೧೩ ಮಧ್ಯಾಹ್ನದ ಹೊತ್ತಿನಲ್ಲಿ
ಪರಲೋಕದಿಂದಾದ ಒಂದು ಬೆಳಕು ನನ್ನ ಸುತ್ತಲೂ ನನ್ನ ಜೊತೆಯಲ್ಲಿ ಪ್ರಯಾಣಮಾಡುತ್ತಿದ್ದವರ
ಸುತ್ತಲೂ ಸೂರ್ಯನ ಹೊಳಪಿಗಿಂತ ಹೆಚ್ಚಾಗಿ ಹೊಳೆಯುವದನ್ನು ಕಂಡೆನು. ೧೪ ನಾವೆಲ್ಲರು
ನೆಲಕ್ಕೆ ಬೀಳಲು — ಸೌಲನೇ, ಸೌಲನೇ, ನನ್ನನ್ನು ಯಾಕೆ ಹಿಂಸೆಪಡಿಸುತ್ತೀ? ಮುಳ್ಳುಗೋಲನ್ನು
ಒದೆಯುವದು ನಿನಗೆ ಕಷ್ಟ ಎಂದು ಇಬ್ರಿಯ ಭಾಷೆಯಿಂದ ಹೇಳುವ ವಾಣಿಯನ್ನು ಕೇಳಿದೆನು.
೧೫ ಆಗ ನಾನು — ಕರ್ತನೇ, ನೀನಾರು? ಅನ್ನಲು ಕರ್ತನು — ನೀನು ಹಿಂಸೆಪಡಿಸುವ
ಯೇಸುವೇ ನಾನು. ೧೬ ನೀನು ಎದ್ದು ನಿಂತುಕೋ, ನಿನ್ನನ್ನು ನನ್ನ ಸೇವಕನಾಗಿಯೂ
ಸಾಕ್ಷಿಯಾಗಿಯೂ ನೇಮಿಸುವದಕ್ಕೋಸ್ಕರ ನಿನಗೆ ಕಾಣಿಸಿಕೊಂಡಿದ್ದೇನೆ. ನಾನು ಈಗಲೂ
ಮುಂದೆ ನಿನಗೆ ಕೊಡಲಿಕ್ಕಿರುವ ದರ್ಶನಗಳಲ್ಲಿಯೂ ನಿನಗೆ ಕಾಣಿಸಿಕೊಂಡದ್ದನ್ನು ಕುರಿತು
ನೀನು ಸಾಕ್ಷಿಯಾಗಿರಬೇಕು. ೧೭ ನಾನು ನಿನ್ನನ್ನು ಇಸ್ರಾಯೇಲ್ ಜನರ ಕೈಯೊಳಗಿಂದಲೂ
ಅನ್ಯಜನರ ಕೈಯೊಳಗಿಂದಲೂ ಬಿಡಿಸುವೆನು. ೧೮ ಅವರು ಕತ್ತಲೆಯಿಂದ ಬೆಳಕಿಗೂ
ಸೈತಾನನ ಅಧಿಕಾರದಿಂದ ದೇವರ ಕಡೆಗೂ ತಿರುಗಿಕೊಂಡು ನನ್ನಲ್ಲಿ ನಂಬಿಕೆಯಿಡುವದರಿಂದ
ಪಾಪಪರಿಹಾರವನ್ನೂ ಪವಿತ್ರರಾದವರಲ್ಲಿ ಹಕ್ಕನ್ನೂ ಹೊಂದುವಂತೆ ಅವರ ಕಣ್ಣುಗಳನ್ನು
ತೆರೆಯಬೇಕೆಂದು ಅವರ ಬಳಿಗೆ ನಾನು ನಿನ್ನನ್ನು ಕಳುಹಿಸುತ್ತೇನೆ ಅಂದನು. ೧೯ ಆದಕಾರಣ
ಅಗ್ರಿಪ್ಪರಾಜನೇ, ಪರಲೋಕದಿಂದ ನನಗೆ ಉಂಟಾದ ಆ ದರ್ಶನಕ್ಕೆ ನಾನು ಅವಿಧೇಯನಾಗದೆ
ಮೊದಲು ದಮಸ್ಕದವರಿಗೆ, ೨೦ ಆ ಮೇಲೆ ಯೆರೂಸಲೇಮಿನಲ್ಲಿಯೂ ಯೂದಾಯದ ಎಲ್ಲಾ
ಸೀಮೆಯಲ್ಲಿಯೂ ಇರುವವರಿಗೆ ಮತ್ತು ಅನ್ಯಜನರಿಗೆ ಸಹ — ನೀವು ದೇವರ ಕಡೆಗೆ
ತಿರುಗಿಕೊಳ್ಳಬೇಕೆಂತಲೂ ಮಾನಸಾಂತರಕ್ಕೆ ಯೋಗ್ಯವಾದ ಕೃತ್ಯಗಳನ್ನು ಮಾಡಬೇಕೆಂತಲೂ
ಸಾರಿದೆನು. ೨೧ ಈ ಕಾರಣದಿಂದ ಯೆಹೂದ್ಯರು ದೇವಾಲಯದಲ್ಲಿ ನನ್ನನ್ನು ಹಿಡಿದು ಕೊಲ್ಲುವದಕ್ಕೆ
ಪ್ರಯತ್ನಿಸಿದರು. ೨೨ ಆದರೆ ನಾನು ದೇವರಿಂದ ಸಹಾಯವನ್ನು ಪಡೆದು ಈ ದಿನದ ವರೆಗೂ
ಸುರಕ್ಷಿತವಾಗಿದ್ದು ಚಿಕ್ಕವರಿಗೂ ದೊಡ್ಡವರಿಗೂ ಸಾಕ್ಷಿಹೇಳುವವನಾಗಿದ್ದೇನೆ. ಪ್ರವಾದಿಗಳೂ
ಮೋಶೆಯೂ ಮುಂದೆ ಆಗುವವೆಂದು ತಿಳಿಸಿದ ಸಂಗತಿಗಳನ್ನೇ ಹೊರತು ಇನ್ನೇನೂ
ಹೇಳುವವನಲ್ಲ. ೨೩ ಆ ಸಂಗತಿಗಳು ಏನಂದರೆ — ಕ್ರಿಸ್ತನು ಬಾಧೆಪಟ್ಟು ಸಾಯಬೇಕಾದವನು,
ಮತ್ತು ಆತನು ಸತ್ತವರೊಳಗಿಂದ ಮೊದಲನೆಯವನಾಗಿ ಎದ್ದು ಯೆಹೂದ್ಯರಿಗೂ ಅನ್ಯಜನರಿಗೂ
ಬೆಳಕನ್ನು ಪ್ರಸಿದ್ಧಿಪಡಿಸುವವನಾಗಿರುವನು ಎಂಬದೇ.

೨೪ ಹೀಗೆ ಪೌಲನು ಪ್ರತಿವಾದ ಮಾಡುತ್ತಿದ್ದಾಗ ಫೆಸ್ತನು ಮಹಾಶಬ್ದದಿಂದ — ಪೌಲನೇ, ನೀನು
ಮರುಳಾಗಿದ್ದೀ; ನೀನು ಬಹಳವಾಗಿ ಮಾಡುವ ಶಾಸ್ತ್ರವಿಚಾರವು ನಿನ್ನನ್ನು ಮರುಳುಗೊಳಿಸುತ್ತದೆ
ಎಂದು ಹೇಳೀದನು. ೨೫ ಅದಕ್ಕೆ ಪೌಲನು — ಶ್ರೀಮನ್ ಮಹಾ ಫೆಸ್ತನೇ, ನಾನು ಮರುಳಾಗಿಲ್ಲ;
ಸ್ವಸ್ಥಬುದ್ಧಿಯುಳ್ಳವನಾಗಿ ಸತ್ಯವಾದ ಮಾತುಗಳನ್ನಾಡುತ್ತೇನೆ. ೨೬ ಅಗ್ರಿಪ್ಪರಾಜನು ಈ ಸಂಗತಿಗಳನ್ನು
ತಿಳಿದವನು; ಅವನ ಮುಂದೆ ಧೈರ್ಯವಾಗಿ ಮಾತಾಡುತ್ತೇನೆ. ಇವುಗಳಲ್ಲಿ ಒಂದಾದರೂ ಅವನಿಗೆ
ಮರೆಯಾದದ್ದಲ್ಲವೆಂದು ನಂಬಿದ್ದೇನೆ, ಯಾಕಂದರೆ ಇದು ಮೂಲೆಯಲ್ಲಿ ನಡೆದ ಕಾರ್ಯವಲ್ಲ.

೨೭ ಅಗ್ರಿಪ್ಪರಾಜನೇ, ಪ್ರವಾದಿಗಳಲ್ಲಿ ನಿನಗೆ ನಂಬಿಕೆಯುಂಟೋ? ಉಂಟೆಂದು ಬಲ್ಲೆನು ಅಂದನು.
೨೮ ಅದಕ್ಕೆ ಅಗ್ರಿಪ್ಪನು — ಅಲ್ಪಪ್ರಯತ್ನದಿಂದ ನನ್ನನ್ನು ಕ್ರೈಸ್ತನಾಗುವದಕ್ಕೆ ಒಡಂಬಡಿಸುತ್ತೀಯಾ?
ಎಂದು ಹೇಳಲು ೨೯ ಪೌಲನು — ಅಲ್ಪಪ್ರಯತ್ನದಿಂದಾಗಲಿ ಅಧಿಕ ಪ್ರಯತ್ನದಿಂದಾಗಲಿ ನೀನು
ಮಾತ್ರವಲ್ಲದೆ ಈಹೊತ್ತು ನನ್ನ ಮಾತುಗಳನ್ನು ಕೇಳುವವರೆಲ್ಲರೂ ಈ ಬೇಡಿಗಳ ಹೊರತು ನನ್ನಂತೆ
ಆಗಬೇಕೆಂದು ದೇವರನ್ನು ಪ್ರಾರ್ಥಿಸುತ್ತೇನೆ ಅಂದನು.
೩೦ ಆ ಮೇಲೆ ರಾಜನೂ ದೇಶಾಧಿಪತಿಯೂ ಬೆರ್ನಿಕೆಯೂ ಅವರ ಸಂಗಡ ಕೂತಿದ್ದವರೂ
ಎದ್ದು ಆಚೆಗೆ ಹೋಗಿ — ೩೧ ಈ ಮನುಷ್ಯನು ಮರಣದಂಡನೆಗಾಗಲಿ ಬೇಡಿಗಾಗಲಿ
ಆಧಾರವಾದದ್ದೇನೂ ಮಾಡುವವನಲ್ಲ ಎಂಬದಾಗಿ ತಮ್ಮ ತಮ್ಮೊಳಗೆ ಮಾತಾಡಿಕೊಳ್ಳುತ್ತಿದ್ದರು.
೩೨ ಅಗ್ರಿಪ್ಪನು ಫೆಸ್ತನಿಗೆ — ಈ ಮನುಷ್ಯನು ಚಕ್ರವರ್ತಿಯ ಎದುರಿನಲ್ಲಿ ಹೇಳಿಕೊಳ್ಳುತ್ತೇನೆಂದು
ಹೇಳದೆ ಹೋಗಿದ್ದರೆ ಇವನನ್ನು ಬಿಡಬಹುದಾಗಿತ್ತು ಎಂದು ಹೇಳಿದನು.

### ಪೌಲನು ಕೈಸರೈಯದಿಂದ ರೋಮಾಪುರಕ್ಕೆ ಪ್ರಯಾಣ ಮಾಡುತ್ತಿರಲು ಹಡಗು ಮೆಲಿತೆದ್ವೀಪದ ದಡದಲ್ಲಿ ಒಡೆದು ನಾಶವಾದದ್ದು

೨೭ ೧ ನಾವು ಸಮುದ್ರಮಾರ್ಗವಾಗಿ ಇತಾಲ್ಯದೇಶಕ್ಕೆ ಹೋಗಬೇಕೆಂಧು ತೀರ್ಮಾನವಾದ
ಮೇಲೆ ಪೌಲನನ್ನೂ ಬೇರೆ ಕೆಲವು ಸೆರೆಯವರನ್ನೂ ಚಕ್ರವರ್ತಿಯ ಪಟಾಲಮಿಗೆ
ಸೇರಿದ ಯೂಲ್ಯನೆಂಬ ಒಬ್ಬ ಶತಾಧಿಪತಿಗೆ ಒಪ್ಪಿಸಿದರು. ೨ ಆಗ ಅದ್ರಮಿತ್ತಿಯದಿಂದ
ಬಂದು ಆಸ್ಯಸೀಮೆಯ ಕರಾವಳಿಯ ಸ್ಥಳಗಳಿಗೆ ಹೋಗುವದಕ್ಕಿದ್ದ ಒಂದು ಹಡಗನ್ನು ಹತ್ತಿ
ಸಮುದ್ರಪ್ರಯಾಣವನ್ನು ಪ್ರಾರಂಭಿಸಿದೆವು. ಮಕೆದೋನ್ಯಕ್ಕೆ ಸೇರಿದ ಥೆಸಲೋನೀಕದ
ಅರಿಸ್ತಾರ್ಕನು ನಮ್ಮ ಜೊತೆಯಲ್ಲಿದ್ದನು. ೩ ಮರುದಿನ ಸೀದೋನಿಗೆ ಮುಟ್ಟಿದೆವು. ಯೂಲ್ಯನು
ಪೌಲನಿಗೆ ದಯೆಯನ್ನು ತೋರಿಸುವವನಾಗಿ ಅವನನ್ನು ಸ್ನೇಹಿತರ ಬಳಿಗೆ ಹೋಗಿ ಸತ್ಕಾರ
ಹೊಂದುವದಕ್ಕೆ ಬಿಟ್ಟನು. ೪ ಅಲ್ಲಿಂದ ಹೊರಟು ಎದುರುಗಾಳಿ ಬೀಸುತ್ತಿದ್ದದರಿಂದ ಕುಪ್ರದ್ವೀಪದ
ಮರೆಯಲ್ಲಿ ಸಾಗಿ ೫ ಕಿಲಿಕ್ಯಕ್ಕೂ ಪಂಫುಲ್ಯಕ್ಕೂ ಎದುರಾಗಿರುವ ಸಮುದ್ರವನ್ನು ದಾಟಿ ಲುಕೀಯ
ಸೀಮೆಯಲ್ಲಿರುವ ಮುರಕ್ಕೆ ಬಂದೆವು. ೬ ಅಲ್ಲಿ ಅಲೆಕ್ಸಾಂದ್ರಿಯದಿಂದ ಬಂದು ಇತಾಲ್ಯದೇಶಕ್ಕೆ
ಹೋಗುತ್ತಿದ್ದ ಒಂದು ಹಡಗನ್ನು ಶತಾಧಿಪತಿಯು ಕಂಡು ನಮ್ಮನ್ನು ಅದರ ಮೇಲೆ ಹತ್ತಿಸಿದನು.
೭ ಅನೇಕ ದಿವಸ ನಿಧಾನವಾಗಿ ಸಾಗುತ್ತಾ ಎಷ್ಟೋ ಪ್ರಯಾಸದಿಂದ ಕ್ನೀದಕ್ಕೆ ಎದುರಾಗಿ ಬಂದಾಗ
ಗಾಲಿಯು ನಮ್ಮನ್ನು ಅಲ್ಲಿಗೆ ಮುಟ್ಟಗೊಡಿಸದೆ ಇದ್ದದರಿಂದ ಕ್ರೇತದ್ವೀಪದ ಮರೆಯಲ್ಲಿ ಸಾಗಿ
ಸಲ್ಮೋನೆಗೆ ಎದುರಾಗಿ ಬಂದು ೮ ಪ್ರಯಾಸದಿಂದ ಆ ದ್ವೀಪದ ಕರಾವಳಿಯನ್ನು ಹಿಡಿದು ಹೋಗಿ
ಚಂದರೇವುಗಳೆಂಬ ಸ್ಥಳಕ್ಕೆ ಸೇರಿದೆವು. ಅದರ ಹತ್ತರದಲ್ಲಿ ಲಸಾಯವೆಂಬ ಪಟ್ಟಣವು ಇತ್ತು.
೯ ಹೀಗೆ ಬಹುಕಾಲ ಕಳೆದುಹೋಯಿತು; ಮಹಾ ಉಪವಾಸದ ದಿವಸವು ಆಗಿಹೋಗಿತ್ತು.
ಈ ಸಂದರ್ಭದಲ್ಲಿ ಸಮುದ್ರಪ್ರಯಾಣ ಮಾಡುವದು ಅಪಾಯಕರವಾಗಿದ್ದದರಿಂದ ಪೌಲನು —
೧೦ ಜನರೇ, ಈ ಪ್ರಯಾಣದಿಂದ ಸರಕಿಗೂ ಹಡಗಿಗೂ ಮಾತ್ರವಲ್ಲದೆ ನಮ್ಮ ಪ್ರಾಣಗಳಿಗೂ ಕಷ್ಟವೂ
ಬಹು ನಷ್ಟವೂ ಸಂಭವಿಸುವದೆಂದು ನನಗೆ ತೋರುತ್ತದೆ ಎಂದು ಅವರನ್ನು ಎಚ್ಚರಿಸಿದನು.
೧೧ ಆದರೆ ಪೌಲನು ಹೇಳಿದ ಮಾತುಗಳಿಗಿಂತ ನಾವಿಕನೂ ಹಡಗಿನ ಯಜಮಾನನೂ
ಹೇಳಿದ ಮಾತಿಗೆ ಶತಾಧಿಪತಿಯು ಹೆಚ್ಚಾಗಿ ಲಕ್ಷ್ಯಕೊಟ್ಟನು. ೧೨ ಆ ರೇವು ಹಿಮಕಾಲವನ್ನು
ಕಳೆಯುವದಕ್ಕೆ ಅನುಕೂಲವಲ್ಲದ್ದರಿಂದ ಅಲ್ಲಿಂದ ಹೊರಟು ಸಾಧ್ಯವಾದರೆ ಹೇಗೂ ಫೊಯಿನಿಕ್ಸ
ಊರನ್ನು ಸೇರಿ ಅಲ್ಲೇ ಆ ಹಿಮಕಾಲವನ್ನು ಕಳೆಯಬೇಕೆಂದು ಹೆಚ್ಚು ಜನರು ಆಲೋಚನೆ
ಹೇಳಿದರು. ಫೊಯಿನಿಕ್ಸವು ಕ್ರೇತದ್ವೀಪದ ಒಂದು ರೇವು; ಅದು ಈತಾನ್ಯ ದಿಕ್ಕಿಗೂ
ಆಗ್ನೇಯ ದಿಕ್ಕಿಗೂ ಅಭಿಮುಖವಾಗಿದೆ. ೧೩ ತೆಂಕಣ ಗಾಳಿ ಮೆಲ್ಲಗೆ ಬೀಸಲಾಗಿ ತಮ್ಮ
ಉದ್ದೇಶವು ಸಾರ್ಥಕವಾಯಿತೆಂದು ಭಾವಿಸಿ ಲಂಗರ ಎತ್ತಿ ಕ್ರೇತದ್ವೀಪವನ್ನು ಅನುಸರಿಸಿ
ತೀರದ ಮಗ್ಗುಲಲ್ಲೇ ಹೋಗುತ್ತಿದ್ದರು. ೧೪ ಸ್ವಲ್ಪ ಹೊತ್ತಿನಮೇಲೆ ಆ ದ್ವೀಪದ ಮೇಲಣಿಂದ
ಈಶಾನ್ಯಪೂರ್ವ ವಾಯು ಎಂಬ ಹುಚ್ಚುಗಾಳಿಯು ಹೊಡೆಯಿತು. ೧೫ ಆ ಹೊಡೆತಕ್ಕೆ ಹಡಗು
ಸಿಕ್ಕಿಕೊಂಡು ಗಾಳಿಗೆದುರಾಗಿ ನಿಲ್ಲುವದಕ್ಕೆ ಆಗದೆಹೋದದರಿಂದ ಗಾಳಿಗೆ ಆಸ್ಪದ ಕೊಟ್ಟು
ನೂಕಿಸಿಕೊಂಡು ಹೋದೆವು. ೧೬ ಕೌಡವೆಂಬ ಒಂದು ಸಣ್ಣ ದ್ವೀಪದ ಮರೆಯಲ್ಲಿ ಹಡಗನ್ನು
ನಡಿಸಿಕೊಂಡು ಬಂದ ತರುವಾಯ ಹಡಗಿನ ದೋಣಿಯನ್ನು ಎತ್ತಿ ಭದ್ರಮಾಡಿಕೊಳ್ಳುವದು
ನಮಗೆ ಪ್ರಯಾಸವಾಯಿತು. ೧೭ ಅದನ್ನು ಮೇಲಕ್ಕೆ ಎತ್ತಿದ ತರುವಾಯ ಹೊರಜಿಗಳನ್ನು
ತೆಗೆದುಕೊಂಡು ಹಡಗಿನ ಕೆಳಭಾಗವನ್ನು ಬಿಗಿದರು. ಆ ಮೇಲೆ ಸುರ್ತಿಸ್ ಎಂಬ ಕಳ್ಳುಸುಬಿನಲ್ಲಿ

ಸಿಕ್ಕಿಬಿದ್ದೇವೆಂದು ಭಯಪಟ್ಟು ಹಾಯಿಯನ್ನು ಸಡಿಲುಮಾಡಿ ನೂಕಿಸಿಕೊಂಡು ಹೋದೆವು.
೧೮ ಗಾಳಿಯು ನಮ್ಮನ್ನು ಅತ್ಯಂತವಾಗಿ ಹೊಯಿದಾಡಿಸಿದ್ದರಿಂದ ಅವರು ಮರುದಿನ ಸರಕನ್ನು
ಬಿಸಾಡುತ್ತಿದ್ದರು. ೧೯ ಮೂರನೆಯ ದಿನದಲ್ಲಿ ಹಡಗಿನ ಅಡ್ಡಮರವನ್ನು ತಮ್ಮ ಕೈಯಿಂದಲೇ
ಹೊರಗೆ ಎತ್ತಿಹಾಕಿದರು. ೨೦ ಅನೇಕ ದಿವಸಗಳತನಕ ಸೂರ್ಯನಾಗಲಿ ನಕ್ಷತ್ರಗಳಾಗಲಿ ನಮಗೆ
ಕಾಣಿಸದೆ ದೊಡ್ಡ ಬಿರುಗಾಳಿ ನಮ್ಮ ಮೇಲೆ ಹೊಡೆದದ್ದರಿಂದ ತಪ್ಪಿಸಿಕೊಂಡೇವೆಂಬ ಎಲ್ಲಾ
ನಿರೀಕ್ಷೆಯು ಅಂದಿನಿಂದ ಕಳೆದುಹೋಯಿತು.

೨೧ ಅವರು ಬಹುಕಾಲ ಊಟವಿಲ್ಲದೆ ಇದ್ದ ಮೇಲೆ ಪೌಲನು ಅವರ ಮಧ್ಯದಲ್ಲಿ ನಿಂತುಕೊಂಡು
— ಎಲೈ ಜನರೇ, ನೀವು ಕ್ರೇತದಿಂದ ಹೊರಟು ಈ ಕಷ್ಟನಷ್ಟಗಳಿಗೆ ಗುರಿಯಾಗದಂತೆ
ನನ್ನ ಮಾತನ್ನು ಕೇಳಬೇಕಾಗಿತ್ತು. ೨೨ ಈಗಲಾದರೂ ನೀವು ಧೈರ್ಯದಿಂದಿರಬೇಕೆಂದು
ನಿಮಗೆ ಬುದ್ಧಿಹೇಳುತ್ತೇನೆ; ಹಡಗು ನಷ್ಟವಾಗುವದೇ ಹೊರತು ನಿಮ್ಮಲ್ಲಿ ಒಬ್ಬರಿಗೂ
ಪ್ರಾಣನಷ್ಟವಾಗುವದಿಲ್ಲ. ೨೩ ನಾನು ಯಾರವನಾಗಿದ್ದೇನೋ ಯಾರನ್ನು ಸೇವಿಸುತ್ತೇನೋ ಆ
ದೇವರಿಂದ ಬಂದ ಒಬ್ಬ ದೂತನು ಕಳೆದ ರಾತ್ರಿಯಲ್ಲಿ ನನ್ನ ಹತ್ತಿರ ನಿಂತು — ೨೪ ಪೌಲನೇ,
ಭಯಪಡಬೇಡ, ನೀನು ಚಕ್ರವರ್ತಿಯ ಮುಂದೆ ನಿಲ್ಲಬೇಕು; ಇದಲ್ಲದೆ ನಿನ್ನ ಸಂಗಡ ಈ
ಹಡಗಿನಲ್ಲಿ ಪ್ರಯಾಣಮಾಡುವವರೆಲ್ಲರ ಪ್ರಾಣ ದೇವರು ನಿನ್ನ ಮೇಲಣ ದಯೆಯಿಂದ
ಉಳಿಸಿಕೊಟ್ಟಿದ್ದಾನೆಂದು ನನ್ನ ಸಂಗಡ ಹೇಳಿದನು. ೨೫ ಆದದರಿಂದ ಜನರೇ ಧೈರ್ಯವಾಗಿರ್ರಿ.
ನನಗೆ ಹೇಳಲ್ಪಟ್ಟ ಪ್ರಕಾರವೇ ಆಗುವದೆಂದು ದೇವರನ್ನು ನಂಬುತ್ತೇನೆ. ೨೬ ಆದರೆ ನಾವು
ಯಾವದೋ ಒಂದು ದ್ವೀಪದ ದಡವನ್ನು ತಾಕಬೇಕಾಗಿದೆ ಎಂದು ಹೇಳಿದನು.

೨೭ ಹದಿನಾಲ್ಕನೆಯ ರಾತ್ರಿ ಬಂದ ಮೇಲೆ ನಾವು ಆದ್ರಿಯ ಸಮುದ್ರದಲ್ಲಿ ಅತ್ತ ಇತ್ತ
ಬಡಿಸಿಕೊಂಡು ಹೋಗುತ್ತಿರುವಾಗ ಸುಮಾರು ಮಧ್ಯರಾತ್ರಿಯಲ್ಲಿ ನಾವಿಕರು ಒಂದು ದೇಶದ
ಹತ್ತಿರ ಬಂದೆವೆಂದು ನೆನಸಿ ೨೮ ಅಳತೇ ಗುಂಡನ್ನು ಇಳಿಸಿ ಇಪ್ಪತ್ತು ಮಾರುದ್ದವೆಂದು
ಕಂಡರು. ಸ್ವಲ್ಪ ಹೊತ್ತಿನ ಮೇಲೆ ಅವರು ತಿರಿಗಿ ಅಳತೇ ಗುಂಡನ್ನು ಇಳಿಸಿ ನೋಡಲಾಗಿ
ಹದಿನೈದು ಮಾರುದ್ದವೆಂದು ಕಂಡರು. ೨೯ ಬಂಡೇಸ್ಥಳವನ್ನು ತಾಕೇವೆಂದು ಭಯಪಟ್ಟು ಹಡಗಿನ
ಹಿಂಭಾಗದಿಂದ ನಾಲ್ಕು ಲಂಗರಗಳನ್ನು ಬಿಟ್ಟು ಯಾವಾಗ ಬೆಳಗಾದೀತು ಎಂದು ಹಾರೈಸುತ್ತಿದ್ದರು.
೩೦ ಆದರೆ ನಾವಿಕರು ಮುಂಭಾಗದಲ್ಲಿ ಲಂಗರಗಳನ್ನು ಹಾಕಬೇಕೆಂಬುವ ನೆವದಿಂದ
ದೋಣಿಯನ್ನು ಸಮುದ್ರದಲ್ಲಿ ಇಳಿಸಿ ಹಡಗನ್ನು ಬಿಟ್ಟು ತಪ್ಪಿಸಿಕೊಂಡುಹೋಗುವದಕ್ಕೆ
ಪ್ರಯತ್ನಿಸುತ್ತಿರುವಾಗ ೩೧ ಪೌಲನು ಶತಾಧಿಪತಿಗೂ ಸಿಪಾಯಿಗಳಿಗೂ — ಇವರು ಹಡಗಿನಲ್ಲಿ
ನಿಲ್ಲದೆ ಹೋದರೆ ನೀವೂ ಉಳುಕೊಳ್ಳುವದಕ್ಕಾಗುವದಿಲ್ಲವೆಂದು ಹೇಳಿದನು. ೩೨ ಆಗ
ಸಿಪಾಯಿಗಳು ದೋಣಿಯ ಹಗ್ಗಗಳನ್ನು ಕತ್ತರಿಸಿ ಅದು ಬಿದ್ದು ಹೋಗುವಂತೆ ಮಾಡಿದರು.
೩೩ ಬೆಳಗಾಗುತ್ತಿರುವಷ್ಟರಲ್ಲಿ ಪೌಲನು ಏನಾದರೂ ಆಹಾರವನ್ನು ತೆಗೆದುಕೊಳ್ಳಬೇಕೆಂದು ಎಲ್ಲರನ್ನು
ಬೇಡಿಕೊಳ್ಳುವವನಾಗಿ — ನೀವು ಈಹೊತ್ತಿಗೆ ಹದಿನಾಲ್ಕು ದಿವಸದಿಂದ ಕಾದುಕೊಂಡು
ಆಹಾರವನ್ನೂ ತೆಗೆದುಕೊಳ್ಳದೆ ಉಪವಾಸವಾಗಿಯೇ ಇದ್ದೀರಾದದರಿಂದ ೩೪ ಆಹಾರ
ತೆಗೆದುಕೊಳ್ಳಬೇಕೆಂದು ನಿಮ್ಮನ್ನು ಬೇಡಿಕೊಳ್ಳುತ್ತೇನೆ. ಇದು ನಿಮ್ಮ ಪ್ರಾಣರಕ್ಷಣೆಗೆ ಅವಶ್ಯ.
ನಿಮ್ಮಲ್ಲಿ ಯಾರ ತಲೆಯಿಂದಾದರೂ ಒಂದು ಕೂದಲೂ ಉದುರಿಹೋಗುವದಿಲ್ಲವೆಂದು ಹೇಳಿ
೩೫ ರೊಟ್ಟಿಯನ್ನು ತೆಗೆದುಕೊಂಡು ಎಲ್ಲರ ಮುಂದೆ ದೇವರ ಸ್ತೋತ್ರಮಾಡಿ ಅದನ್ನು ಮುರಿದು
ತಿನ್ನುವದಕ್ಕೆ ಪ್ರಾರಂಭಿಸಿದನು. ೩೬ ಆಗ ಎಲ್ಲರ ಧೈರ್ಯತಂದು ಕೊಂಡು ತಾವೂ ಆಹಾರವನ್ನು
ತೆಗೆದುಕೊಂಡರು. ೩೭ ಆ ಹಡಗಿನಲ್ಲಿದ್ದ ನಾವೆಲ್ಲರು ಇನ್ನೂರ ಎಪ್ಪತ್ತಾರು ಮಂದಿ ೩೮ ಸಾಕಾದಷ್ಟು
ತಿಂದ ಮೇಲೆ ಗೋದಿಯನ್ನು ಸಮುದ್ರಕ್ಕೆ ಚೆಲ್ಲಿ, ಹಡಗನ್ನು ಹಗುರ ಮಾಡಿದರು. ೩೯ ಬೆಳಗಾದ
ಮೆಲೆ ಆ ದೇಶದ ಗುರುತನ್ನು ತಿಳಿಯದೆ ಉಸುಬಿನ ದಡವುಳ್ಳ ಒಂದು ಕೊಲ್ಲಿಯನ್ನು ನೋಡಿ ಆ
ದಡದ ಮೇಲೆ ಹಡಗನ್ನು ನೂಕುವದಕ್ಕೆ ಸಾಧ್ಯವಾದೀತೆಂದು ಯೋಚಿಸಿ ೪೦ ಅವರು ಲಂಗರಗಳನ್ನು
ಸರಿದು ಸಮುದ್ರದಲ್ಲೇ ಬಿಟ್ಟು ಚುಕಾಣಿಗಳ ಕಟ್ಟುಗಳನ್ನು ಬಿಚ್ಚಿ ದೊಡ್ಡ ಹಾಯಿಯನ್ನು ಗಾಳಿಗೆ
ಎತ್ತಿಕಟ್ಟಿ ಹಡಗನ್ನು ಆ ದಡಕ್ಕೆ ನಡಿಸುತ್ತಿದ್ದರು. ೪೧ ಆದರೆ ಮಧ್ಯದಲ್ಲಿ ಅವರಿಗೆ ಮರಳದಿಬ್ಬ
ಸಿಕ್ಕಿದಾಗ ಅದಕ್ಕೆ ನಾವೆಯನ್ನು ಹತ್ತಿಸಿದರು. ಮುಂಭಾಗವು ತಗಲಿಕೊಂಡು ಅಲ್ಲಾಡದೆ ನಿಂತಿತು.
ಹಿಂಭಾಗವು ತೆರೆಗಳ ಹೊಡತದಿಂದ ಒಡೆದುಹೋಗುತ್ತಾ ಬಂತು. ೪೨ ಸೆರೆಯವರಲ್ಲಿ ಕೆಲವರು
ಈಜಿ ತಪ್ಪಿಸಿಕೊಂಡಾರೆಂದು ಸಿಪಾಯಿಗಳು ಅವರನ್ನು ಕೊಲ್ಲಬೇಕೆಂಬದಾಗಿ ಆಲೋಚನೆ
ಹೇಳಿದರು. ೪೩ ಆದರೆ ಶತಾಧಿಪತಿಯು ಪೌಲನ್ನು ಉಳಿಸಬೇಕೆಂದು ಅಪೇಕ್ಷಿಸಿ ಅವರ
ಆಲೋಚನೆಯನ್ನು ಬೇಡವೆಂದು — ಈಜಬಲ್ಲವರು ಹಡಗದಿಂದ ಧುಮುಕಿ ಮೊದಲಾಗಿ

ತೀರಕ್ಕೆ ಹೋಗಬೇಕೆಂತಲೂ ೪೪ ಮಿಕ್ಕಾದವರಲ್ಲಿ ಕೆಲವರು ಹಲಿಗೆಗಳ ಮೇಲೆ ಕೆಲವರು
ಹಡಗಿನ ತುಂಡುಗಳ ಮೇಲೆ ಹೋಗಬೇಕೆಂತಲೂ ಅಪ್ಪಣೆಕೊಟ್ಟನು. ಈ ರೀತಿಯಿಂದ ಎಲ್ಲರೂ
ಸುರಕ್ಷಿತವಾಗಿ ತೀರಕ್ಕೆ ಸೇರಿದರು.

### ಮೆಲೀತೆದ್ವೀಪದಲ್ಲಿ ಪೌಲನಿಗೆ ಸಂಭವಿಸಿದ ಅಪಾಯವೂ ಉಂಟಾದ ಸನ್ಮಾನವೂ

೨೮ ೧ ನಾವು ದಡಕ್ಕೆ ಸೇರಿದ ಮೇಲೆ ಆ ದ್ವೀಪದ ಹೆಸರು ಮೆಲೀತೆ ಎಂದು ನಮಗೆ
ತಿಳಿದುಬಂತು. ೨ ಅನ್ಯಭಾಷೆಯವರಾದ ಆ ದ್ವೀಪದವರು ನಮಗೆ ಮಾಡಿದ ಉಪಕಾರವು
ಅಷ್ಟಿಷ್ಟಲ್ಲ. ಮಳೆಯು ಆಗಲೇ ಹೊಯ್ಯುತ್ತಿದ್ದರಿಂದಲೂ ಚಳಿಯಾಗಿರುವದರಿಂದಲೂ ಅವರು
ಬೆಂಕಿಯನ್ನು ಹೊತ್ತಿಸಿ ನಮ್ಮೆಲ್ಲರನ್ನು ಸೇರಿಸಿ ಕೊಂಡರು. ೩ ಪೌಲನು ಒಂದು ಹೊರೆ
ಕಟ್ಟಿಗೆಯನ್ನು ಕೂಡಿಸಿ ಬೆಂಕಿಯ ಮೇಲೆ ಹಾಕಲು ಆ ಕಾವಿನ ದೆಸೆಯಿಂದ ಒಂದುಹಾವು
ಹೊರಗೆ ಬಂದು ಅವನ ಕೈಯನ್ನು ಬಿಗಿಯಾಗಿ ಹಿಡುಕೊಂಡಿತು. ೪ ಆ ಜಂತು ಅವನ
ಕೈಯಿಂದ ಜೋತಾಡುವದನ್ನು ದ್ವೀಪದವರು ನೋಡಿ — ಈ ಮನುಷ್ಯನು ಕೊಲೆಪಾತಕನೇ ಸರಿ;
ಸಮುದ್ರದಿಂದ ತಪ್ಪಿಸಿಕೊಂಡು ಬಂದರೂ ನ್ಯಾಯವು ಇವನನ್ನು ಬದುಕಗೊಡಿಸುವದಿಲ್ಲವೆಂದು
ತಮ್ಮತಮ್ಮೊಳಗೆ ಮಾತಾಡಿಕೊಂಡರು. ೫ ಆದರೆ ಪೌಲನು ಆ ಜಂತುವನ್ನು ಬೆಂಕಿಯೊಳಕ್ಕೆ
ಝಾಡಿಸಿಬಿಟ್ಟನು; ಅವನಿಗೆ ಏನೂ ಕೇಡಾಗಲಿಲ್ಲ. ೬ ಇವನು ಬಾತುಹೋದಾನು ಇಲ್ಲವೆ
ಅಕಸ್ಮಾತ್ತಾಗಿ ಸತ್ತುಬಿದ್ದಾನು ಎಂದು ನೋಡಿ ಕೊಂಡಿದ್ದ ಮೇಲೆ ಅವನಿಗೆ ವಿಕಾರವೇನೂ
ಆಗಿಲ್ಲವೆಂದು ಕಂಡು ಬೇರೆ ಯೋಚನೆಯುಳ್ಳವರಾಗಿ — ಇವನು ಒಬ್ಬ ದೇವರು ಎಂದು
ಹೇಳಿಕೊಂಡರು.

೭ ಆ ಸ್ಥಳದ ಸಮೀಪದಲ್ಲಿ ದ್ವೀಪದ ಮುಖ್ಯಸ್ಥನಾದ ಪೊಪ್ಲಿಯನೆಂಬವನಿಗೆ ಕೆಲವು ಭೂಮಿ
ಇತ್ತು. ಅವನು ನಮ್ಮನ್ನು ಸೇರಿಸಿಕೊಂಡು ಮೂರು ದಿವಸ ಆದರದಿಂದ ಸತ್ಕರಿಸಿದನು.
೮ ಅವನ ತಂದೆಯು ಜ್ವರದಿಂದಲೂ ರಕ್ತಭೇದಿಯಿಂದಲೂ ಪೀಡಿತನಾಗಿ ಮಲಗಿದ್ದನು.
ಪೌಲನು ಅವನ ಬಳಿಗೆ ಹೋಗಿ ದೇವರ ಪ್ರಾರ್ಥನೆ ಮಾಡಿ ಅವನ ಮೇಲೆ ಕೈಗಳನ್ನಿಟ್ಟು
ಅವನನ್ನು ವಾಸಿಮಾಡಿದನು. ೯ ಇದಾದ ಮೇಲೆ ಆ ದ್ವೀಪದಲ್ಲಿದ್ದ ಮಿಕ್ಕಾದ ರೋಗಿಗಳು
ಅವನ ಬಳಿಗೆ ಬಂದು ಸ್ವಸ್ಥರಾದರು. ೧೦ ಅವರು ನಮ್ಮನ್ನು ಬಹಳವಾಗಿ ಸನ್ಮಾನಿಸಿದ್ದಲ್ಲದೆ ನಾವು
ಬಿಟ್ಟು ಹೊರಟಾಗ ನಮಗೆ ಅಶ್ಯವಾದ ಪದಾರ್ಥಗಳನ್ನು ತಂದು ಹಡಗಿನಲ್ಲಿಟ್ಟರು. /ಪೌಲನು
ರೋಮಾಪುರಕ್ಕೆ ಸೇರಿ ಅಲ್ಲಿ ಎರಡು ವರುಷ ಸೆರೆಯವನಾಗಿದ್ದು ಕ್ರಿಸ್ತನ ವಿಷಯವಾಗಿ
ಉಪದೇಶಮಾಡುತ್ತಾ ಬಂದದ್ದು ೧೧ ಮೂರು ತಿಂಗಳಾದ ಮೇಲೆ ಅಲೆಕ್ಸಾಂದ್ರಿಯದಿಂದ ಬಂದು
ಆ ದ್ವೀಪದಲ್ಲಿ ಹಿಮಕಾಲವನ್ನು ಕಳೆದಿದ್ದ ಒಂದು ಹಡಗನ್ನು ಹತ್ತಿ ಹೊರಟೆವು. ಆ ಹಡಗಿಗೆ
ಅತ್ವಿನೀದೇವತೆಗಳೆಂಬ ಚಿಹ್ನೆ. ೧೨ ನಾವು ಸುರಕೂಸಿಗೆ ಮುಟ್ಟಿ ಅಲ್ಲಿ ಮೂರು ದಿವಸ ನಿಂತೆವು.
೧೩ ಅಲ್ಲಿಂದ ನಾವು ಸುತ್ತಿಕೊಂಡುಹೋಗಿ ರೇಗಿಯಕ್ಕೆ ಸೇರಿದೆವು. ಒಂದು ದಿನವಾದ ಮೇಲೆ
ತೆಂಕಣಗಾಳಿ ಹುಟ್ಟಿದ್ದರಿಂದ ಎರಡನೆಯ ದಿನದಲ್ಲಿ ಪೊತಿಯೋಲಕ್ಕೆ ಬಂದೆವು. ೧೪ ಅಲ್ಲಿ
ಕ್ರಿಸ್ತ ಸಹೋದರರು ಸಿಕ್ಕಿದರು; ಅವರು ನಮ್ಮನ್ನು ತಮ್ಮ ಬಳಿಯಲ್ಲಿ ಏಳು ದಿವಸ ಇರಬೇಕೆಂದು
ಬೇಡಿಕೊಂಡರು. ತರುವಾಯ ರೋಮಾಪುರಕ್ಕೆ ಬಂದೆವು. ೧೫ ಅಲ್ಲಿದ್ದ ಸಹೋದರರು ನಮ್ಮ
ಸಮಾಚಾರವನ್ನು ಕೇಳಿದಾಗ ನಮ್ಮನ್ನು ಎದುರುಗೊಳ್ಳುವದಕ್ಕಾಗಿ ಕೆಲವರು ಅಪ್ಪಿಯಪೇಟೆಯ
ವರೆಗೂ ಕೆಲವರು ತ್ರಿಛತ್ರವೆಂಬ ಸ್ಥಳದ ವರೆಗೂ ಬಂದರು. ಪೌಲನು ಅವರನ್ನು ನೋಡಿ ದೇವರ
ಸ್ತೋತ್ರವನ್ನು ಮಾಡಿ ಧೈರ್ಯಗೊಂಡನು.

೧೬ ನಾವು ರೋಮಾಪುರಕ್ಕೆ ಬಂದ ಮೇಲೆ ಪೌಲನು ತನ್ನನ್ನು ಕಾಯುತ್ತಿದ್ದ ಸಿಪಾಯಿಯೊಂದಿಗೆ
ಪ್ರತ್ಯೇಕವಾಗಿರಬಹುದೆಂಬ ಅಪ್ಪಣೆಯನ್ನು ಹೊಂದಿದನು.

೧೭ ಮೂರು ದಿವಸಗಳಾದ ಮೇಲೆ ಪೌಲನು ಯೆಹೂದ್ಯರಲ್ಲಿ ಪ್ರಮುಖರನ್ನು ತನ್ನ ಬಳಿಗೆ
ಕರೆಯಿಸಿದನು. ಅವರು ಕೂಡಿದ ಮೇಲೆ ಅವನು ಅವರಿಗೆ — ಸಹೋದರರೇ, ನಾನು
ನಮ್ಮ ಜನರಿಗೂ ನಮ್ಮ ಪಿತೃಗಳ ಆಚಾರಗಳಿಗೂ ವಿರುದ್ಧವಾಗಿ ಏನೂ ಮಾಡದವನಾದರೂ
ಯೆರೂಸಲೇಮಿನಿಂದ ರೋಮಾಯರ ಕೈಗೆ ಸೆರೆಯವನಾಗಿ ಒಪ್ಪಿಸಲ್ಪಟ್ಟೆನು. ೧೮ ಅವರು
ನನ್ನನ್ನು ವಿಚಾರಣೆಮಾಡಿ ನನ್ನಲ್ಲಿ ಮರಣದಂಡನೆಗೆ ಕಾರಣವೇನೂ ಇಲ್ಲದ್ದರಿಂದ ನನ್ನನ್ನು
ಬಿಡಿಸಬೇಕೆಂದಿದ್ದರು. ೧೯ ಅದಕ್ಕೆ ಯೆಹೂದ್ಯರು ಅಡ್ಡಮಾತಾಡಿದ್ದರಿಂದ ನಾನು ಚಕ್ರವರ್ತಿಯ
ಎದುರಿನಲ್ಲಿ ಹೇಳಿಕೊಳ್ಳುತ್ತೇನೆಂದು ಹೇಳಬೇಕಾಗಿ ಬಂತು. ನನ್ನ ಸ್ವದೇಶದವರ ಮೇಲೆ
ದೋಷಾರೋಪಣೆ ಮಾಡಬೇಕೆಂಬ ಅಭಿಪ್ರಾಯದಿಂದ ಅದನ್ನು ಹೇಳಲಿಲ್ಲ. ೨೦ ಈ ಕಾರಣದಿಂದ

ನಾನು ನಿಮ್ಮನ್ನು ಕಂಡು ಮಾತಾಡಬೇಕೆಂದು ಕರೆಯಿಸಿದೆನು. ಇಸ್ರಾಯೇಲ್ ಜನರ ನಿರೀಕ್ಷೆಯ
ನಿಮಿತ್ತವಾಗಿ ಈ ಬೇಡಿಯಿಂದ ಕಟ್ಟಲ್ಪಟ್ಟಿದ್ದೇನೆ ಎಂದು ಹೇಳಿದನು. ೨೧ ಅವರು ಅವನಿಗೆ —
ನಿನ್ನ ವಿಷಯವಾಗಿ ನಮಗೆ ಯೂದಾಯದಿಂದ ಕಾಗದಗಳು ಬರಲಿಲ್ಲ, ಸಹೋದರರಲ್ಲಿ ಒಬ್ಬರೂ
ಬಂದು ನಿನ್ನ ವಿಷಯವಾಗಿ ಕೆಟ್ಟದ್ದನ್ನು ತಿಳಿಸಲೂ ಇಲ್ಲ, ಮಾತಾಡಲೂ ಇಲ್ಲ. ೨೨ ಅದರೆ ನಿನ್ನ
ಅಭಿಪ್ರಾಯವನ್ನು ನಿನ್ನಿಂದಲೇ ಕೇಳುವದು ನಮಗೆ ಯುಕ್ತನೆಂದು ತೋರುತ್ತದೆ. ಆ ಮತದ
ವಿಷಯದಲ್ಲಿ ಜನರು ಎಲ್ಲೆಲ್ಲಿಯೂ ವಿರುದ್ಧವಾಗಿ ಮಾತಾಡುತ್ತಾರೆಂಬದೊಂದೇ ನಮಗೆ ಗೊತ್ತದೆ
ಅಂದರು.

೨೩ ಅವರು ಅವನಿಗೆ ಒಂದು ದಿವಸವನ್ನು ಗೊತ್ತುಮಾಡಲು ಬಹುಮಂದಿ ಅವನ ಬಿಡಾರದಲ್ಲಿ
ಅವನ ಬಳಿಗೆ ಬಂದರು. ಅವನು ಬೆಳಗಿನಿಂದ ಸಾಯಂಕಾಲದ ವರೆಗೂ ದೇವರ ರಾಜ್ಯವನ್ನು
ಕುರಿತು ಪ್ರಮಾಣವಾಗಿ ಸಾಕ್ಷಿಹೇಳುತ್ತ ಮೋಶೆಯ ಧರ್ಮಶಾಸ್ತ್ರವನ್ನೂ ಪ್ರವಾದಿಗಳ ಗ್ರಂಥಗಳನ್ನೂ
ಆಧಾರಮಾಡಿಕೊಂಡು ಯೇಸುವಿನ ವಿಷಯದಲ್ಲಿ ಅವರನ್ನು ಒಡಂಬಡಿಸುತ್ತಾ ಇದ್ದನು. ೨೪ ಅವನು
ಹೇಳಿದ ಮಾತುಗಳಿಗೆ ಕೆಲವರು ಒಪ್ಪಿಕೊಂಡರು; ಕೆಲವರು ನಂಬದೆ ಹೋದರು. ೨೫ ಅವರಲ್ಲಿ
ಐಕಮತ್ಯವಿಲ್ಲದೆ ಇರುವಾಗ ಪೌಲನು ಅವರಿಗೆ — ಪವಿತ್ರಾತ್ಮನು ಪ್ರವಾದಿಯಾದ ಯೆಶಾಯನ
ಬಾಯಿಂದ ೨೬ ನಿಮ್ಮ ಪಿತೃಗಳಿಗೆ ವಿಹಿತವಾಗಿ ಹೇಳಿದ್ದೇನಂದರೆ—
ನೀನು ಈ ಜನರ ಬಳಿಗೆ ಹೋಗಿ ಅವರಿಗೆ—
ನೀವು ಕಿವಿಯಿದ್ದು ಕೇಳೀದರೂ ತಿಳುಕೊಳ್ಳುವದೇ ಇಲ್ಲ;
ಕಣ್ಣಿದ್ದು ನೋಡಿದರೂ ಕಾಣುವದೇ ಇಲ್ಲ ಎಂಬದಾಗಿ ಹೇಳು.
೨೭ ಯಾಕಂದರೆ ಈ ಜನರ ಹೃದಯವು ಕೊಬ್ಬಿತು;
ಇವರ ಕಿವಿ ಮಂದವಾಯಿತು;
ಇವರು ಕಣ್ಣು ಮುಚ್ಚಿಕೊಂಡಿದ್ದಾರೆ;
ತಾವು ಕಣ್ಣಿನಿಂದ ಕಂಡು
ಕಿವಿಯಿಂದ ಕೇಳಿ ಹೃದಯದಿಂದ ತಿಳಿದು
ನನ್ನ ಕಡೆಗೆ ತಿರುಗಿಕೊಂಡು ನನ್ನಿಂದ ಸ್ವಸ್ಥತೆಯನ್ನು ಹೇಗೂ ಹೊಂದಬಾರದೆಂದು
ಮಾಡಿಕೊಂಡಿದ್ದಾರೆ ಎಂಬದೇ.

೨೮ ಆದಕಾರಣ ದೇವರಿಂದಾದ ಈ ರಕ್ಷಣೆಯು ಅನ್ಯಜನರಿಗೆ ಹೇಳಿಕಳುಹಿಸಲ್ಪಟ್ಟಿದೆ ಎಂದು
ನಿಮಗೆ ಚೆನ್ನಾಗಿ ತಿಳಿದಿರಲಿ; ಅವರಾದರೂ ಕೇಳುವರು ಎಂದು ಹೇಳಿದನು. ೨೯ ಅವನು ಈ
ಮಾತನ್ನು ಹೇಳಿದ ಮೇಲೆ ಅವರು ಹೊರಟುಹೋದರು.

೩೦ ತರುವಾಯ ಅವನು ತಾನೇ ಮಾಡಿಕೊಂಡ ಬಾಡಿಗೆಯ ಮನೆಯಲ್ಲಿ ಪೂರಾ ಎರಡು ವರುಷ
ಇದ್ದು ತನ್ನ ಬಳಿಗೆ ಬರುವವರೆಲ್ಲರನ್ನು ಸೇರಿಸಿಕೊಂಡು ೩೧ ಯಾವ ಅಡ್ಡಿಯೂ ಇಲ್ಲದೆ ತುಂಬಾ
ಧೈರ್ಯದಿಂದ ದೇವರ ರಾಜ್ಯವನ್ನು ಪ್ರಸಿದ್ಧಿಪಡಿಸುತ್ತಾ ಕರ್ತನಾದ ಯೇಸು ಕ್ರಿಸ್ತನ ವಿಷಯವಾಗಿ
ಉಪದೇಶಮಾಡುತ್ತಾ ಇದ್ದನು.

# ಪೌಲನು ಕೊರಿಂಥದವರಿಗೆ ಬರೆದ ಮೊದಲನೆಯ ಪತ್ರಿಕೆ

## ಪೌಲನು ಕೊರಿಂಥದವರಿಗೆ ಬರೆದ ಮೊದಲನೆಯ ಪತ್ರಿಕೆ

೧ ೧ ದೇವರ ಚಿತ್ತದಿಂದ ಯೇಸು ಕ್ರಿಸ್ತನ ಅಪೊಸ್ತಲನಾಗುವದಕ್ಕೆ ಕರೆಯಲ್ಪಟ್ಟ ಪೌಲನೂ
ಸಹೋದರನಾದ ಸೂಸ್ತೈನನೂ, ೨ ಕೊರಿಂಥದಲ್ಲಿ ದೇವರ ಸಭೆಗೆ ಅಂದರೆ ಕ್ರಿಸ್ತ್ರುಸುವಿನಲ್ಲಿ
ಪ್ರತಿಷ್ಖಿಇತರೂ ದೇವಜನರಾಗುವದಕ್ಕೆ ಕರೆಯಲ್ಪಟ್ಟವರೂ ಆಗಿರುವವರಿಗೆ ಮತ್ತು ನಮಗೂ
ಸಮಸ್ತ ದೇವಜನರಿಗೂ ಕರ್ತನಾಗಿರುವ ಯೇಸು ಕ್ರಿಸ್ತನ ನಾಮಸ್ಮರಣೆಯನ್ನು ಮಾಡುವವರು
ಎಲ್ಲಿದ್ದರೂ ಅವರೆಲ್ಲರಿಗೆ ಬರೆಯುವದೇನಂದರೆ- ೩ ನಮ್ಮ ತಂದೆಯಾಗಿರುವ ದೇವರಿಂದಲೂ
ಕರ್ತನಾದ ಯೇಸು ಕ್ರಿಸ್ತನಿಂದಲೂ ನಿಮಗೆ ಕೃಪೆಯೂ ಶಾಂತಿಯೂ ಆಗಲಿ.

## ಪೌಲನು ಸಭೆಯವರ ವಿಷಯದಲ್ಲಿ ದೇವರಿಗೆ ಮಾಡಿದ ಕೃತಜ್ಞತಾಸ್ತುತಿ

೪ ಕ್ರಿಸ್ತ ಯೇಸುವಿನಲ್ಲಿ ದೇವರು ನಿಮಗೆ ಅನುಗ್ರಹಿಸಿದ ಕೃಪೆಯ ನಿಮಿತ್ತ ನಾನು ನಿಮ್ಮ
ವಿಷಯದಲ್ಲಿ ಯಾವಾಗಲೂ ದೇವರನ್ನು ಕೊಂಡಾಡುತ್ತೇನೆ. ೫-೬ ಯಾಕಂದರೆ ಕ್ರಿಸ್ತನ ವಿಷಯವಾದ
ಸಾಕ್ಷೀಯು ನಿಮ್ಮಲ್ಲಿ ದೃಢವಾಗಿ ನೆಲೆಗೊಂಡ ಕಾರಣ ನೀವು ಎಲ್ಲಾ ನುಡಿಯಲ್ಲಿಯೂಎಲ್ಲಾ
ತಿಳುವಳಿಕೆಯಲ್ಲಿಯೂ ಆತನಲ್ಲಿ ಸಮೃದ್ಧಿಹೊಂದಿದವರಾಗಿದ್ದೀರಿ. ೭ ಹೀಗೆ ನೀವು ಯಾವ
ಕೃಪಾವರದಲ್ಲಿಯೂ ಕೊರತೆಯಿಲ್ಲದವರಾಗಿ ನಮ್ಮ ಕರ್ತನಾದ ಯೇಸು ಕ್ರಿಸ್ತನ ಪ್ರತ್ಯೇಕ್ಷತೆಯನ್ನು
ಎದುರುನೋಡುತ್ತಾ ಇದ್ದೀರಿ.ನಮ್ಮ ಕರ್ತನಾದ ಯೇಸು ಕ್ರಿಸ್ತನ ದಿನದಲ್ಲಿ ಯಾರು ನಿಮ್ಮ ಮೇಲೆ
ತಪ್ಪು ಹೊರಿಸಲಾಗದಂತೆ ಆತನು ನಿಮ್ಮನ್ನು ಕಡೇವರಗೂ ದೃಢಪಡಿಸುವನು. ೮-೯ ದೇವರು
ನಂಬಿಗಸ್ತನು. ನಮ್ಮ ಕರ್ತನಾದ ಯೇಸು ಕ್ರಿಸ್ತನೆಂಬ ತನ್ನ ಮಗನ ಅನ್ಯೋನ್ಯತೆಗೆನಿಮ್ಮನ್ನು
ಕರೆದವನು ಆತನೇ.

## ಕೊರಿಂಥದವರು ಬೇರೆ ಬೇರೆ ಬೋಧಕರನ್ನು ಅನುಸರಿಸಿದ್ದರಿಂದ ಸಭೆಯಲ್ಲಿ ಉಂಟಾದ ಭೇಧಗಳನ್ನು ಕುರಿತದ್ದು.

೧೦ ಸಹೋದರರೆ, ನಿಮ್ಮೆಲ್ಲರ ಮಾತು ಒಂದೇ ಆಗಿರಬೇಕು. ನಿಮ್ಮಲ್ಲಿ ಭೇದಗಳಿರಬಾರದು.
ನೀವು ಒಂದೇ ಮನಸ್ಸೂ ಒಂದೇ ಅಭಿಪ್ರಾಯವೂ ಉಳ್ಳವರಾಗಿದ್ದು ಹೊಂದಿಕೆಯಿಂದಿರಬೇಕು.
ಎಂಬದಾಗಿ ನಾನು ನಮ್ಮ ಕರ್ತವಾದ ಯೇಸು ಕ್ರಿಸ್ತನ ಹೆಸರಿನಲ್ಲಿ ನಿಮ್ಮನ್ನು ಬೇಡಿಕೊಳ್ಳುತ್ತೇನೆ.
೧೧ ಯಾಕಂದರೆ ನನ್ನ ಸಹೋದರರೇ, ನಿಮ್ಮಲ್ಲಿ ಜಗಳಗಳುಂಟೆಂದು ನಿಮ್ಮ ವಿಷಯವಾಗಿ
ಖ್ಲೋಯೆಯ ಮನೆಯವರಿಂದ ನನಗೆ ತಿಳಿದು ಬಂತು ೧೨ ನಿಮ್ಮೊಳಗೆ ಪ್ರತಿಯೊಬ್ಬನು
ನಾನು ಪೌಲನವನು ಇಲ್ಲವೆ ನಾನು ಅಪೊಲ್ಲೋಸನವನು ಅಥವಾ ನಾನು ಕೇಫನವನು ಇಲ್ಲವೆ
ನಾನು ಕ್ರಿಸ್ತನವನು ಎಂದು ಹೇಳಿಕೊಳ್ಳುತ್ತಾನಂತೆ. ೧೩ ಕ್ರಿಸ್ತನು ವಿಭಾಗವಾಗಿದ್ದಾನೋ ?
ನಿಮಗೋಸ್ಕರ ಶಿಲುಬೆಗೆ ಹಾಕಿಸಿಕೊಂಡವನು ಪೌಲನೋ?ನೀವು ಪೌಲನ ಹೆಸರಿನಲ್ಲಿ
ದೀಕ್ಷಾಸ್ನಾನ ಮಾಡಿಸಿಕೊಂಡಿರೋ? ೧೪-೧೫ ನಿಮ್ಮಲ್ಲಿ ಕ್ರಿಸ್ಪನಿಗೂ ಗಾಯಕವಿಗೂ
ಹೊರತಾಗಿ ಮತ್ತಾರಿಗೂ ನಾನು ದೀಕ್ಷಾಸ್ನಾನಮಾಡಿಸಲಿಲ್ಲವಾದದರಿಂದ ನೀವು ನನ್ನ
ಹೆಸರಿನಲ್ಲಿ ದೀಕ್ಷಾಸ್ನಾನಮಾಡಿಸಿಕೊಂಡಿರೆಂದು ಯಾರೂ ಹೇಳಲಾಗದು. ಅದಕ್ಕಾಗಿ
ದೇವರಿಗೆ ಸ್ತೋತ್ರ ಮಾಡುತ್ತೇನೆ. ೧೬ ಇದಲ್ಲದೆ ಸ್ತೇಫನನ ಮನೆಯವರಿಗೆ ಸಹ ದೀಕ್ಷಾಸ್ನಾನ
ಮಾಡಿಸಿದೆನು. ಇವರಿಗಲ್ಲದೆ ಇನ್ನಾರಿಗೂ ನಾನು ದೀಕ್ಷಾಸ್ನಾನ ಮಾಡಿಸಿದಂತೆ ಕಾಣೆನು.
೧೭ ದೀಕ್ಷಾಸ್ನಾನಮಾಡಿಸುವದಕ್ಕಲ್ಲ ಸುವಾರ್ತೆಯನ್ನು ಸಾರುವದಕ್ಕೇ ಕ್ರಿಸ್ತನು ನನ್ನನ್ನು ಕಳುಹಿಸಿದನು.
ಆದರೆ ವಾಕ್ಚಾತುರ್ಯದಿಂದ ಸಾರಬೇಕೆಂದು ಕಳುಹಿಸಲಿಲ್ಲ. ಹಾಗೆ ಸಾರಿದರೆ ಕ್ರಿಸ್ತನ
ಶಿಲುಬೆಯು ನಿಷ್ಫಲವಾಗುವದು.

## ಕ್ರಿಸ್ತನ ಸುವಾರ್ತೆಯು ಮಾನುಷ್ಯ ಜ್ಞಾನಕ್ಕೆ ಅನುಸಾರವಾದದ್ದಲ್ಲ.

೧೮ ಶಿಲುಬೆಯ ವಿಷಯವಾದ ಮಾತು ನಾಶನದ ಮಾರ್ಗದಲ್ಲಿರುವವರಿಗೆ ಹುಚ್ಚು ಮಾತಾಗಿದೆ.
ರಕ್ಷಣೆಯ ಮಾರ್ಗದಲ್ಲಿರುವ ನಮಗಾದರೋ ದೇವರ ಶಕ್ತಿಯಾಗಿದೆ.

೧೯ ಜ್ಞಾನಿಗಳ ಜ್ಞಾನವನ್ನು ನಾಶಮಾಡುವೆನು. ವವೇಕಿಗಳ ವಿವೇಕವನ್ನು ನಿರಾಕರಿಸುವೆನು.
ಎಂಬದಾಗಿ ಶಾಸ್ತ್ರೋಕ್ತಿಯುಂಟಲ್ಲಾ. ೨೦ ಜ್ಞಾನಿಯು ಎಲ್ಲಿ? ಶಾಸ್ತ್ರಿಯೆಲ್ಲಿ? ಇಹಲೋಕದ
ತರ್ಕವಾದಿ ಎಲ್ಲಿ? ದೇವರು ಇಹಲೋಕ ಜ್ಞಾನವನ್ನು ಹುಚ್ಚುತನವಾಗಿ ಮಾಡಿದ್ದಾನಲ್ಲವೇ
೨೧ ಹೇಗೆಂದರೆ ಲೋಕವು ಜ್ಞಾನವೆನಿಸುವ ಮಾರ್ಗದಿಂದ ದೇವರನ್ನು ತಿಳುಕೊಳ್ಳದೆ
ಹೋದದ್ದು ದೇವರ ಜ್ಞಾನದ ಸಂಕಲ್ಪವೆ. ಹೀಗಾದ ಮೇಲೆ ಹುಚ್ಚು ಮಾತು ಎಣಿಸಿಕೊಂಡಿರುವ
ನಮ್ಮ ಪ್ರಸಂಗದಿಂದಲೇ ನಂಬುವವರನ್ನು ರಕ್ಷಿಸುವದು ದೇವರಿಗೆ ಒಳ್ಳೇದೆಂದು ತೋಚಿತು
೨೨ ಯೆಹೋದ್ಯರು ಸೂಚಕಕರ್ಯಗಳನ್ನು ಕೇಳುತ್ತಾರೆ.ಗ್ರೀಕರು ಜ್ಞಾನವನ್ನು ಹುಡುಕುತ್ತಾರೆ.
೨೩ ನಾವಾದರೋ ಶಿಲುಬೆಗೆ ಹಾಕಲ್ಪಟ್ಟವನಾದ ಕ್ರಿಸ್ತನನ್ನು ಪ್ರಚುರಪಡಿಸುತ್ತೇವೆ. ಇಂಥ ಕ್ರಿಸ್ತನ
ಸಂಗತಿಯು ಯೆಹೂದ್ಯರಿಗೆ ವಿಘ್ನವೂ ಅನ್ಯಜನರಿಗೆ ಹುಚ್ಚು ಮಾತೂ ಆಗಿದೆ. ೨೪ ಆದರೆ
ದೇವರಿಂದ ಕರಿಸಿಕೊಂಡವರು ಯೆಹೂದ್ಯರಾಗಲಿ ಗ್ರೀಕರಾಗಲಿಅವರಿಗೆ ಇಂಥವನು ದೇವರ
ಶಕ್ತಿಯೂ ದೇವರ ಜ್ಞಾನವೂ ಆಗಿರುವ ಕ್ರಿಸ್ತನೇ. ೨೫ ಲೋಕದವರು ದೇವರಲ್ಲಿ ಯಾವುದನ್ನು
ಬುದ್ದಿಹೀನತೆಯೆಂದು ಎಣಿಸುತ್ತಾರೋ ಅದು ಮನುಷ್ಯರ ಜ್ಞಾನಕ್ಕಿಂತಲೂ ಶ್ರೇಷ್ಠ ಜ್ಞಾನವಾಗಿದೆ.
ಅವರು ದೇವರಲ್ಲಿ ಯಾವದನ್ನು ಬಲಹೀನ

೨೬ ಸಹೋದರರೇ, ದೇವರು ನಿಮ್ಮನ್ನು ಕರೆದಾಗ ಎಂಥವರನ್ನು ಕರೆದನೆಂದು ಆಲೋಚಿಸಿರಿ.
ನಿಮ್ಮೊಳಗೆ ಲೌಕೀಕ ದೃಷ್ಟಿಯಲ್ಲಿ ಜ್ಞಾನಿಗಳು ಅನೇಕರಿಲ್ಲ. ಅಧಿಕಾರಿಗಳೂ ಅನೇಕರಿಲ್ಲ.
ಕುಲೀನರೂ ಅನೇಕರಿಲ್ಲ. ೨೭ ದೇವರು ಜ್ಞಾನಿಗಳನ್ನು ನಾಚಿಕೆಪಡಿಸುವದಕ್ಕಾಗಿ ಈಲೋಕದ
ಬುದ್ದಿಹೀನರನ್ನು ಆರಿಸಿಕೊಂಡಿದ್ದಾನೆ. ದೇವರು ಬಲಿಷ್ಠರನ್ನು ನಾಚಿಕೆಪಡಿಸುವದಕ್ಕಾಗಿ ಈ
ಲೋಕದ ಬಲಹೀನರನ್ನು ಆರಿಸಿಕೊಂಡಿದ್ದಾನೆ. ೨೮-೨೯ ದೇವರು ಈ ಲೋಕದ ಕುಲಹೀನರನ್ನೂ
ಅಸಡ್ಡೆಯಾದವರನ್ನೂ ಆರಿಸಿಕೊಂಡದ್ದಲ್ಲದೆ ಗಣ್ಯರನ್ನು ಇಲ್ಲದಂತೆ ಮಾಡುವದಕ್ಕಾಗಿ ಗಣನೆಗೆ
ಬಾರದವರನ್ನು ಆರಿಸಿಕೊಂಡಿದ್ದಾನೆ. ಹೀಗಿರಲು ದೇವರ ಮುಂದೆ ಹೊಗಳಿಕೊಳ್ಳುವದಕ್ಕೆ
ಯಾರಿಗೂ ಆಸ್ಪದವಿಲ್ಲ. ೩೦ ನೀವು ಕ್ರಿಸ್ತ ಯೇಸುವಿನಲ್ಲಿರುವದು ಆತನಿಂದಲೇ. ಕ್ರಿಸ್ತ
ಯೇಸು ನಮಗೆ ದೇವರ ಕಡೆಯಿಂದ ಜ್ಞಾನವೂ ನೀತಿ ಶುದ್ದೀಕರಣ ವಿಮೋಚನೆಗಳಿಗೆ
ಕಾರಣನೂ ಥದನು. ೩೧ ಹೆಚ್ಚಳ ಪಡುವವನು ಕರ್ತನಲ್ಲಿಯೇ ಹೆಚ್ಚಳ ಪಡಲಿ ಎಂಬ ವೇದೋಕ್ತಿ
ನೆರವೇರುವದಕ್ಕೆ ಇದರಿಂದ ಮಾರ್ಗವಾಯಿತು.

೨ ೧ ಸಹೋದರರೇ ನಾನಂತೂ ದೇವರು ಹೇಲೀಕೊಟ್ಟ ಮಾತನ್ನು ತಿಳಿಸುವವನಾಗಿ
ನಿಮ್ಮ ಬಳಿಗೆ ಬಂದಾಗ ವಾಕ್ಚಾತುರ್ಯದಿಂದಾಗಲಿ ಜ್ಞಾನಾಡಾಂಬರದಿಂದಾಗಲಿ ಬರಲಿಲ್ಲ.
೨ ನಾನು ಶಿಲುಬೆಗೆ ಹಾಕಲ್ಪಟ್ಟವನಾದ ಯೇಸು ಕ್ರಿಸ್ತನನ್ನೇ ಹೊರತು ಬೇರೆ ಯಾವುದನ್ನೂ
ತಿಳಿಯದವನಾಗಿ ನಿಮ್ಮಲ್ಲಿ ಇರುವೆನೆಂದು ತೀರ್ಮಾನಿಸಿಕೊಂಡೆನು. ೩ ಇದಲ್ಲದೆ ನಾನು
ನಿಮ್ಮಲ್ಲಿಗೆ ಬಂದಾಗ ನಿಮ್ಮ ಬಳಿದಲ್ಲಿ ಬಲಹೀನನೂ ಭಯಪಡುವವನೂ ಬಹು ನಡುಗುವವನೂ
ಆಗಿದ್ದೇನು. ೪-೫ ನಿಮ್ಮ ನಂಬಿಕೆಯು ಮನುಷ್ಯಜ್ಞಾನವನ್ನು ಆಧಾರ ಮಾಡಿಕೊಳ್ಳದೆ ದೇವರ
ಶಕ್ತಿಯನ್ನು ಆದಾರಮಾಡಿಕೊಳ್ಳಬೇಕೆಂದು ನನ್ನ ಬೋಧನೆಯಲ್ಲಯೂ ಪ್ರಸಂಗದಲ್ಲಿಯೂ
ಮನವೊಲಿಸುವ ಜ್ಞಾನವಾಕ್ಯಗಳನ್ನು ನಾನು ಪ್ರಯೋಗಿಸದೇ ದೇವರಾತ್ಮನ ಬಲವನ್ನು
ತೋರ್ಪಡಿಸುವ ವಾಕ್ಯಗಳನ್ನೇ ಪ್ರಯೋಗಿಸಿದೆನು.

೬ ಆದರೂ ಪ್ರವೀಣರಲ್ಲಿ ಜ್ಞಾನವನ್ನೇ ಹೇಳುತ್ತೇವೆ. ಅದು ಇಹಲೋಕದ ಜ್ಞಾನವಲ್ಲ. ಇಲ್ಲದೆ
ಹೋಗುವ ಇಹಲೋಕಾದಿಕಾರಿಗಳ ಜ್ಞಾನವೂ ಅಲ್ಲ. ೭ ಇದುವರೆಗೆ ಗುಪ್ತವಾಗಿದ್ದ ಸತ್ಯಾರ್ಥವನ್ನು
ತಿಳಿಸುವಲ್ಲಿ ದೇವರ ಜ್ಞಾನವನ್ನೇ ಹೇಳುತ್ತೇವೆ. ಅದು ಯಾವದೆಂದರೆ ದೆವರು ನಮ್ಮ
ಮಹಿಮೆಗಾಗಿ ಲೋಕೋತ್ಪತ್ತಿಗಿಂತ ಮೊದಲೇ ನೇಮಿಸಿ ಇದುವರೆಗೆ ಮರೆಮಾಡಿದ
ಜ್ಞಾನವೆ. ೮ ಇದನ್ನು ಇಹಲೋಕಾದಿಕಾರಿಗಳಲ್ಲಿ ಯಾರೂ ಅರಿಯಲಿಲ್ಲ. ಅರಿತಿದ್ದರೆ ಅವರು
ಮಹಿಮೆಯುಳ್ಳ ಕರ್ತನನ್ನು ಶಿಲುಬೆಗೆ ಹಾಕಿಸುತ್ತಿರಲಿಲ್ಲ. ೯ ಆದರೆ ಬರೆದಿರುವ ಪ್ರಕಾರ
ದೇವರು ತನನ್ನು ಪ್ರೀತಿಸುವವರಿಗಾಗಿ ಸಿದ್ಧಮಾಡಿರುವಂಥದೆಲ್ಲವನ್ನು ಕಣ್ಣು ಕಾಣಲಿಲ್ಲ
ಕಿವಿಕೇಳಲಿಲ್ಲ. ಅದರ ಭಾವನೆಯು ಮನುಷ್ಯನ ಹೃದಯದಲ್ಲಿ ಹುಟ್ಟಲಿಲ್ಲ. ೧೦ ನಮಗಾದರೋ
ದೇವರು ತನ್ನ ಆತ್ಮನ ಮೂಲಕ ಅದನ್ನು ಪ್ರಕಟಿಸಿದನು. ಆ ಆತ್ಮನು ಎಲ್ಲಾ ವಿಷಯಗಳಲ್ಲಿ ದೇವರ
ಅಗಾಧವಾದ ವಿಷಯಗಳನ್ನು ಕೂಡ ಪರಿಶೋಧಿಸುವವನಾಗಿದ್ದಾನೆ. ೧೧ ಮನುಷ್ಯ ಒಳಗಿನ
ಆಲೋಚನೆಗಳು ಅವನಲ್ಲಿರುವ ಜೀವಾತ್ಮಕ್ಕೆ ಹೊರತು ಮತ್ತಾರಿಗೆ ತಿಳಿಯುವದಿ?ಹಾಗೆಯೇ
ದೇವರಾಲೋಚನೆಗಳನ್ನು ದೇವರ ಆತ್ಮನೇ ಹೊತು ಬೇರೆ ಯಾರೂ ಗ್ರಹಿಸುವದಿಲ್ಲ. ೧೨ ನಾವು
ಪ್ರಾಪಂಚಿಕ ಆತ್ಮವನ್ನು ಹೊಂದದೆ ದೇವರು ನಮಗೆ ದಯಪಾಲಿಸಿರುವ ಕೃಪಾವರಗಳನ್ನು

ತಿಳುಕೊಳ್ಳುವದಕ್ಕಾಗಿ ದೇವರಿಂದ ಬಂದ ಆತ್ಮವನ್ನೇ ಹೊಂದಿದೆವು. ೧೩ ಇವುಗಳಿಂದ
ಮನುಷಜ್ಞಾನವುಕಲಿಸಿದ ಮಾತುಗಳಿಂದ ಹೇಳದೇದೇವರಾತ್ಮವೇ ಕಲಿಸಿಕೊಟ್ಟಮಾತುಗಳಿಂದ
ಹೇಳಿ ಆತ್ಮಸಂಭಂಧವಾದವುಗಳನ್ನು ಆತ್ಮನಿಗೆ ಯುಕ್ತವಾದ ರೀತಿಯಲ್ಲಿ ವಿವರಿಸುತ್ತೇವೆ.
೧೪ ಪ್ರಾಕೃತಮನುಷನು ದೇವರಾತ್ಮ ವಿಷಯಗಳನ್ನು ಬೇಡವೆನ್ನುತ್ತಾನೆ.ಅವು ಅವನಿಗೆ ಹುಚ್ಚು
ಮಾತಾಗಿ ತೋರುತ್ತವೆ. ಅವು ಆತ್ಮವಿಚಾರದಿಂದ ತಿಳಿಯತಕ್ಕವುಗಳಾಗಿರಲಾಗಿ ಅವನು
ಅವುಗಳನ್ನು ಗ್ರಹಿಸಲಾರನು. ೧೫ ದೇವರಾತ್ಮನಿಂದ ನಡಿಸಿಕೊಳ್ಳುವವನೋ ಎಲ್ಲವನ್ನೂ ವಿಚಾರಿಸಿ
ತಿಳುಕೊಳ್ಳುತ್ತಾನೆ. ಆದರೆ ಇವನನ್ನು ಯಾವನಾದರೂ ವಿಚಾರಿಸಿ ತಿಳುಕೊಳ್ಳುವದಿಲ್ಲ. ೧೬ ಕರ್ತನ
ಮನಸ್ಸನ್ನು ತಿಳುಕೊಂಡು ಆತನಿಗೆ ಉಪದೇಶಿಸುವವನಾರು ಎಂದು ಬರೆದಿದೆಯಲ್ಲಾ
ನಮಗಾದರೋ ಕ್ರಿಸ್ತನ ಮನಸ್ಸು ದೊರಕಿತು.

೩ ೧ ಸಹೋದರರೇ, ನಾನಂತೂ ದೇವರಾತ್ಮನಿಂದ ನಡಿಸಿಕೊಳ್ಳುವವರಿಗೆ ತಕ್ಕಂತೆ ನಿಮ್ಮ
ಸಂಗಡ ಮಾತಾಡಲಾರದೆ ಪ್ರಾಪಂಚಿಕರೂ ಕ್ರಿಸ್ತನ ವಿಷಯದಲ್ಲಿ ಎಳೆಗೂಸುಗಳೂ
ಆಗಿರುವಂಥವರಿಗೆ ತಕ್ಕಂತೆ ನಿಮ್ಮ ಸಂಗಡ ಮಾತಾಡಬೇಕಾಯಿತು. ೨ ನಿಮಗೆ ಹಾಲು
ಕುಡಿಸಿದೆನು ಅನ್ನಾ ಕೊಡಲಿಲ್ಲ.ಅನ್ನಾ ತಿನ್ನುವದಕ್ಕೆ ನಿಮಗೆ ಇನ್ನೂ ಶಕ್ತಿ ಇರಲಿಲ್ಲ.ಈಗಲಾದರೂ
ಶಕ್ತಿ ಇಲ್ಲ. ೩ ಯಾಕಂದರೆ ಇನ್ನೂ ಶರೀರಾಧೀನಸ್ವಭಾವವುಳ್ಳವರಾಗಿದ್ದೀರಿ. ನಿಮ್ಮಲ್ಲಿ ಹೊಟ್ಟೆಕಿಚ್ಚು
ಜಗಳಗಳು ಇರುವಲ್ಲಿ, ನೀವು ಶರೀರಾಧೀನಸ್ವಭಾವವುಳ್ಳವರಾಗಿದ್ದು ಕೇವಲ ನರಪ್ರಾಣಿಗಳಂತೆ
ನಡೆಯುತ್ತೀರಲ್ಲವೆ . ೪ ಒಬ್ಬನು - ನಾನು ಪೌಲನವನುಎಂದು, ಮತ್ತೊಬ್ಬನು - ನಾನು
ಅಪೊಲ್ಲೋಸನವನು ಎಂದು ಹೇಳುತ್ತಿರುವಾಗ ನೀವು ಕೇವಲ ನರಪ್ರಾಣಿಗಳಾಗಿದ್ದೀರಲ್ಲವೇ.

ಸುವಾರ್ತೆಯನ್ನು ಸಾರುವವರು ದೇವರ ಕೈಯುಲ್ಲಿ ಬರೀ ಸಾಧನಗಳಷ್ಟೆ ; ಕಾರ್ಯಕರ್ತನು ದೇವರೇ.

೫ ಹಾಗಾದರೆ ಅಪೊಲ್ಲೋಸನು ಏನು? ಪೌಲನು ಏನು? ಅವರು ಸೇವಕರು ಅವರ ಮುಖಾಂತರ
ನೀವು ಕ್ರಿಸ್ತನನ್ನು ನಂಬುವವರಾದಿರಿ ಕರ್ತನು ಒಬ್ಬೊಬ್ಬನಿಗೆ ದಯಪಾಲಿಸಿದ ಪ್ರಕಾರ
ಅವರು ಸೇವೆಮಾಡುವವರಾಗಿದ್ದಾರೆ. ೬ ನಾನು ಷಿಯನ್ನು ನೆಟ್ಟೆನು. ಅಪೊಲ್ಲೋಸನು ನೀರು
ಹೊಯಿದನು. ಆದರೆ ಬೆಳೆಸುತ್ತಾ ಬಂದವನು ದೇವರೆ. ೭ ಹೀಗಿರಲಾಗಿ ನೆಡುವವನಾಗಲಿ
,ನೀರುಹೊಯ್ಯುವವನಾಗಲಿವಿಶೇಷವಾದವನಲ್ಲ. ಬೆಳೆಸುವ ದೇವರೆ ವಿಶೇಷವಾದವನು.
೮ ನೆಡುವವನೂ ನೀರು ಹೊಯ್ಯುವವನೂ ಒಂದೇ ಆಗಿದ್ದಾರೆ. ಆದರೂ ಪ್ರತಿಯೊಬ್ಬನಿಗೆ
ಅವನವನ ಕಷ್ಟದ ತಕ್ಕ ಹಾಗೆ ಕೂಲಿಯು ದೊರೆಯುವದು. ೯ ನಾವು ದೇವರ ಜೊತೆಕೆಲಸದವರು.
ನೀವು ದೇವರ ಹೊಲವೂ ದೇವರ ಕಟ್ಟಡವೂ ಆಗಿದ್ದೀರಿ.

೧೦ ದೇವರು ನನಗೆ ಕೃಪೆಯಿಂದ ಒಪ್ಪಿಸಿದ ಕೆಲಸವನ್ನು ವಡಿಸಿ ನಾನು ಪ್ರವೀಣಶಿಲ್ಪಿಯಂತೆ
ಅಸ್ತಿವಾರ ಹಾಕಿದೆನು. ಮತ್ತೊಬ್ಬನು ಅದರ ಮೇಲೆ ಕಟ್ಟುತ್ತಾನೆ. ಪ್ರತಿಯೊಬ್ಬನು ತಾನು ಅದರ
ಮೇಲೆ ಎಂಥದ್ದನ್ನು ಕಟ್ಟುತ್ತಾನೋ ಎಚ್ಚರಿಕೆಯಾಗಿರಬೇಕು. ೧೧ ಹಾಕಿರುವ ಅಸ್ತಿವಾರವು
ಯೇಸು ಕ್ರಿಸ್ತನೇ ಆ ಅಸ್ತಿವಾರವನ್ನಲ್ಲದೆ ಮತ್ತೊಂದು ಅಸ್ತಿವಾರವನ್ನು ಯಾರೂ ಹಾಕಲಾರರಷ್ಟೆ.
೧೨ ಆ ಅಸ್ತಿವಾರದ ಮೇಲೆ ಚಿನ್ನ ಬೆಳ್ಳಿ ರತ್ನ ಕಟ್ಟಿಗೆ ಆಪು ಮುಂತಾದವುಗಳಲ್ಲಿಯಾವುದರಿಂದ
ಕಟ್ಟಿದರೂ, ೧೩ ಅವನವನ ಕೆಲಸವು ವ್ಯಕ್ತವಾಗುವದು. ಕ್ರಿಸ್ತನು ಬರುವ ದಿನವು ಬೆಂಕಿಯೊಡನೆ
ಉದಯವಾಗಿ ಆ ಕೆಲಸವನ್ನು ಸ್ಪಷ್ಟವಾಗಿ ತೋರಿಸುವದು. ಅವನವನ ಕೆಲಸವೆಂಥದೋ ಆ
ಬೆಂಕಿ ಶೋಧಿಸುವದು. ೧೪ ಒಬ್ಬನು ಆ ಅಸ್ತಿವಾರದ ಮೇಲೆ ಕಟ್ಟಿದ್ದು ಉಳಿದರೆ ಅವನಿಗೆ
ಸಂಬಳ ಬರುವದು. ೧೫ ಒಬ್ಬನು ಕಟ್ಟಿದ್ದು ಸುಟ್ಟು ಹೋದರೆ ಅವನಿಗೆ ಸಂಬಳವು ನಷ್ಟವಾಗುವದು.
ತಾನಾದರೋ ರಕ್ಷಣೆ ಹೊಂದುವನು. ಆದರೆ ಬೆಂಕಿಯೊಳಗಿಂದ ತಪ್ಪಿಸಿಕೊಂಡವನ
ಹಾಗಿರುವನು.

೧೬ ನೀವು ದೇವರ ಆಲಯವಾಗಿದ್ದೀರೆಂದೂ ದೇವರ ಆತ್ಮನು ನಿಮ್ಮಲ್ಲಿ ವಾಸಮಾಡುತ್ತಾನೆಂದೂ
ನಿಮಗೆ ಗೊತ್ತಿಲ್ಲವೋ? ೧೭ ಯಾವನಾದರು ದೇವರ ಆಲಯವನ್ನು ಕೆಡಿಸಿದರೆ ದೇವರು
ಅವನನ್ನು ಕೆಡಿಸುವನು. ಯಾಕಂದರೆ ದೇವರ ಆಲಯವು ಪವಿತ್ರವಾದದ್ದು ಆ ಆಲಯವು ನೀವೇ.

೧೮ ಯಾವನೂ ತನ್ನನ್ನು ತಾನೇ ಮೋಸಗೊಳಿಸದಿರಲಿ ತಾನು ನಿಮ್ಮಲ್ಲಿ ಲೋಕಸಂಬಂದವಾಗಿ
ಜ್ಞಾನಿಯಾಗಿದ್ದೇನೆಂದು ಭಾವಿಸಿಕೊಳ್ಳುವವನು ಜ್ಞಾನಿಯಾಗುವಂತೆ ಹುಚ್ಚನಾಗಲಿ
೧೯ ಯಾಕಂದರೆ ಇಹಲೋಕ ಜ್ಞಾನವು ದೇವರ ಮುಂದೆ ಹುಚ್ಚುತನವಾಗಿದೆ. ಆತನು
ಜ್ಞಾನಿಗಳನ್ನು ಅವರ ತಂತ್ರಗಳಲ್ಲಿಯೆ ಹಿಡುಕೊಳ್ಳುತ್ತಾನೆಂತಲೂ, ೨೦ ಜ್ಞಾನಿಗಳ ಯೋಚನೆಗಳು
ನಿಷ್ಫಲವಾದವುಗಳೆಂದು ಕರ್ತನು ತಿಳುಕೊಳ್ಳುತ್ತಾನೆಂತಲೂ ಬರೆದದೆಯಲ್ಲಾ ೨೧ ಆದಕಾರಣ

ಮನುಷಮಾತ್ರದವರ ವಿಷಯದಲ್ಲಿ ಯಾರೂ ಹಿಗ್ಗದಿರಲಿ. ಯಾಕಂದರೆ ಸಮಸ್ತವೂ ನಿಮ್ಮದೆ.
೨೨ ಪೌಲನಾಗಲಿ ಅಪೊಲ್ಲೋಸನಾಗಲಿ, ಕೇಫನಾಗಲಿ ಲೋಕವಾಗಲಿ, ಜೀವವಾಗಲಿ
ಮರಣವಾಗಲಿ ಈಗಿನ ಸಂಗತಿಗಳಾಗಲಿ ಮುಂದಣ ಸಂಗತಿಗಳಗಲಿ ಸಮಸ್ತವೂ ನಿಮ್ಮದೇ.
೨೩ ನೀವಂತೂ ಕ್ರಿಸ್ತನವರು , ಕ್ರಿಸ್ತನು ದೇವರವನು.

### ಸುವಾರ್ತಾ ಬೋಧಕರ ವಿಷಯದಲ್ಲಿ ಮನುಷ್ಯರ ಎಣಿಕೆ ವಿಶೇಷವಲ್ಲ, ದೇವರ ಎಣಿಕೆಯೇ ಮುಖ್ಯ.

೪ ೧ ಜವರು ನಮ್ಮನ್ನು ಕ್ರಿಸ್ತನ ಕೈಕೆಳಗಿನವರೆಂತಲು ದೇವರು ತಿಳಿಸಿರುವ
ಸತ್ಯಾರ್ಥಗಳ ವಿಷಯದಲ್ಲಿ ಮನೆವಾರ್ತೆಯವರೆಂತಲೂ ಎಣಿಸಬೇಕು. ೨ ಹೀಗಿರಲು
ಮನೆವಾರ್ತೆಯವನು ನಂಬಿಗಸ್ತನಾಗಿ ಕಂಡುಬರುವದು ಅವಶ್ಯವಲ್ಲವೇ. ೩ ನನಗಾದರೂ
ನಿಮ್ಮಿಂದಾಗಲಿ ಮನುಷ್ಯರು ನೇಮಿಸುವ ದಿನದಲ್ಲಾಗುವ ನ್ಯಾಯಸಭೆಯಿಂದಾಗಲಿ
ವಿಚಾರಣೆಯಾಗುವದು ಅತ್ಯಲ್ಪ ಕಾರ್ಯವಾಗಿದೆ. ನಾನೂ ನನ್ನನ್ನು ವಿಚಾರಿಸಿಕೊಳ್ಳುವದಿಲ್ಲ.
೪ ನನ್ನಲ್ಲಿ ದೋಷವಿದೆಯೆಂದು ನನ್ನ ಬುದ್ದಿಗೆ ತೋರುವದಿಲ್ಲವಾದರೂ ದೋಷವಿಲ್ಲದವನೆಂಬ
ನಿರ್ಣಯವು ಇದರಿಂದಾಗುವದಿಲ್ಲ. ನನ್ನನ್ನು ವಿಚಾರಣೆಮಾಡುವವನು ಕರ್ತನೇ ೫ ಆದದರಿಂದ
ಕಾಲಕ್ಕೆ ಮೊದಲು ಯಾವುದನ್ನು ಕುರಿತು ತೀರ್ಪುಮಾಡಬೇಡಿರಿ. ಕರ್ತನು ಬರುವ ತನಕ
ತಡೆಯಿರಿ. ಆತನು ಕತ್ತಲೆಯಲ್ಲಿರುವ ಗುಪ್ತಕಾರ್ಯಗಳನ್ನು ಬೆಳಕಿಗೆ ತರುವನು. ಹೃದಯದ
ಯೋಚನೆಗಳನ್ನು ಪ್ರತ್ಯಕ್ಷಪಡಿಸುವನು. ಆ ಕಾಲದಲ್ಲಿ ಪ್ರತಿಯೊಬ್ಬನಿಗೆ ಬರತಕ್ಕ ಹೊಗಳಿಕೆಯು
ದೇವರಿಂದ ಬರುವದು.

### ಪೌಲನು ಕೊರಿಂಥ ಸಭೆಯವರನ್ನು ತಂದೆಯೋಪಾದಿಯಲ್ಲಿ ಗಧರಿಸಿದ್ದು.

೬ ಸಹೋದರರೇ, ನಾನು ನಿಮಗೋಸ್ಕರ ಹಿಂದಣ ಮಾತುಗಳನ್ನು ಸಾಮ್ಯರೂಪವಾಗಿ ನನ್ನ
ವಿಷಯದಲ್ಲಿಯೂ ಅಪೊಲ್ಲೋಸನ ವಿಷಯವಾಗಿಯೂ ಹೇಳಿದ್ದೇನೆ. ನೀವು ನಮ್ಮನ್ನು
ದೃಷ್ಟಾಂತವಾಗಿ ಇಟ್ಟುಕೊಂಡು ಶಾಸ್ತ್ರದಲ್ಲಿ ಬರೆದಿರುವದನ್ನು ಮೀರಿಹೋಗಬಾರದೆಂಬದನ್ನೂ
ನಿಮ್ಮಲ್ಲಿ ಯಾರೂ ಒಬ್ಬ ಬೋಧಕನನ್ನು ವಿರೋಧಿಸಿ ಮತ್ತೊಬ್ಬನ ಪಕ್ಷವನ್ನು ಹಿಡಿದು
ಉಬ್ಬಿಕೊಳ್ಳಬಾರದೆಂಬದನ್ನೂ ಕಲಿತುಕೊಳ್ಳಬೇಕು. ೭ ನಿನಗೂ ಇತರರಿಗೂ ತಾರತಮ್ಯ
ಮಾಡಿದವರು ಯಾರು? ದೇವರಿಂದ ಹೊಂದದೆ ಇರುವಂಥದು ನಿನ್ನಲ್ಲಿ ಒಂದಾದರೂ ಉಂಟೋ?
ಹೊಂದಿದ ಮೇಲೆ ಹೊಂದದವನಂತೆ ನೀನು ಯಾಕೆ ಹಿಗ್ಗಿಕೊಳ್ಳುತ್ತೀ. ಈಗಾಗಲೇ ನೀವು
ತೃಪ್ತರಾದಿರಿ. ೮ ಈಗಾಗಲೇ ಐಶ್ವರ್ಯವಂತರಾದಿರಿ. ನಮ್ಮ ಸಹಾಯವಿಲ್ಲದೆ ಅರಸರಾದಿರಿ. ನೀವು
ನಿಜವಾಗಿ ಅರಸರಾಗಿದ್ದರೆ ನನಗೆ ಎಷ್ಟೋ ಆನಂದವಾಗುತ್ತಿತ್ತು. ಆಗ ನಾವು ಸಹ ನಿಮ್ಮೊಂದಿಗೆ
ಅರಸರಾಗುತ್ತಿದ್ದೇವು. ೯ ಹಾಗಾಗದೆ ದೇವರು ಅಪೊಸ್ತಲರಾದ ನಮ್ಮನ್ನು ಮರಣವಿಧಿ
ಹೊಂದಿದವರನ್ನೋ ಎಂಬಂತೆ ಕಡೆಯವರಾಗಿ ತೋರಿಸಿದ್ದಾನೆಂದು ನನಗೆ ತೋಚುತ್ತದೆ. ನಾವು
ದೇವದೂತರಿಗೂ ಮನುಷ್ಯರಿಗೂ ಅಂತೂ ಜಗತ್ತಿಗೆಲ್ಲಾ ನೋಟವಾದೆವು. ೧೦ ನಾವಂತೂ ಕ್ರಿಸ್ತನ
ನಿಮಿತ್ತ ಹುಚ್ಚರಾಗಿದ್ದೇವೆ. ನೀವೋ ಕ್ರಿಸ್ತನಲ್ಲಿ ಬುದ್ದಿವಂತರಾಗಿದ್ದೀರಿ. ನಾವು ಬಲಹೀನರು
ನೀವು ಬಲಿಷ್ಠರು ನೀವು ಮನಶಾಲಿಗಳು ನಾವು ಮಾನಹೀನರು. ೧೧ ಈ ಗಳಿಗೆಯವರೆಗೂ
ನಾವು ಹಸಿದವರೂ ಬಾಯಾರಿಕೆಯುಳ್ಳವರೂ ಮೈಗೆ ವಸ್ತ್ರವಿಲ್ಲದವರೂ ಗುದ್ದು ತಿನ್ನುವವರೂ
ಮನೆಯಿಲ್ಲದವರೂ, ೧೨ ಸ್ವಂತ ಕೈಗಳಿಂದ ಕೆಲಸಮಾಡಿ ದುಡಿಯುವವರೂ ಆಗಿದ್ದೇವೆ.
ಬೈಸಿಕೊಂಡು ಹರಸುತ್ತೇವೆ. ಹಿಂಸೆಪಟ್ಟು ಸಹಿಸಿಕೊಳ್ಳುತ್ತೇವೆ. ಅಪಕೀರ್ತಿಹೊಂದಿ
ಆದರಿಸುತ್ತೇವೆ. ೧೩ ನಾವು ಈ ಗಿನವರೆಗೂ ಲೋಕದ ಕಸವೋ ಎಲ್ಲಾದರ ಹೊಲಸೋ ಎಂಬಂತೆ
ಆಗಿದ್ದೇವೆ.

೧೪ ನಿಮ್ಮನ್ನು ನಾಚಿಕೆಪಡಿಸುವದಕ್ಕಾಗಿ ಬರೆಯದೆ ನನ್ನ ಮಕ್ಕಳೆಂದು ಭಾವಿಸಿ ನಿಮಗೆ ಬುದ್ದಿ
ಹೇಳುವದಕ್ಕಾಗಿಯೇ ಈ ಮಾತುಗಳನ್ನು ಬರೆದಿದ್ದೇನೆ. ೧೫ ನಿಮಗೆ ಕ್ರಿಸ್ತನಲ್ಲಿ ಉಪಾದ್ಯಾಯರು
ಸಾವಿರಾರು ಮಂದಿ ಇದ್ದರೂ ತಂದೆಗಳು ಬಹು ಮಂದಿಲ್ಲ ನಾನೇ ನಿಮ್ಮನ್ನು ಸುವಾರ್ತೆಯ ಮೂಲಕ
ಕ್ರಿಸ್ತ ಯೇಸುವಿನಲ್ಲಿ ಪಡೆದೆನು. ೧೬ ಆದದರಿಂದ ನನ್ನನ್ನು ಅನುಸರಿಸಬೇಕೆಂದು ನಿಮ್ಮನ್ನು
ಬೇಡಿಕೊಳ್ಳುತ್ತೇನೆ. ೧೭ ಈ ನಿಮಿತ್ತದಿಂದ ಕರ್ತನಲ್ಲಿ ಣ್ಣ ಮಗನಾದ ತಿಮೋಥಿಯನನ್ನು ನಿಮ್ಮ
ಬಳಿಗೆ ಕಳುಹಿಸಿಕೊಟ್ಟಿದ್ದೇನೆ. ಅವನು ನನಗೆ ಪ್ರೀಯನೂ ನಂಬಿಗಸ್ತನೂ ಆಗಿದ್ದಾನೆ. ಅವನು
ಕ್ರಿಸ್ತನ ಸೇವೆಯಲ್ಲಿರುವ ನನ್ನ ನಡಾವಳಿಯನ್ನು ಅಂದರೆ ನಾನು ಎಲ್ಲೆಲ್ಲಿಯೂ ಪ್ರತಿಯೊಂದು

ಸಭೆಯಲ್ಲಿಯೂ ಬೋಧಿಸುವ ಕ್ರಮವನ್ನು ನಿಮ್ಮ ನೆನಪಿಗೆ ತರುವನು. ೧೮ ನಿಮ್ಮಲ್ಲಿ
ಕೆಲವರು ಪೌಲನು ನಮ್ಮ ಬಳಿಗೆ ಬರುವದಿಲ್ಲವೆಂದು ಉಬ್ಬಿಕೊಂಡಿದ್ದಾರೆ. ೧೯ ಆದರೆ ಕರ್ತನ
ಚಿತ್ತವಾದರೆ ನಾನು ಬೇಗ ನಿಮ್ಮ ಬಳಿಗೆ ಬಂದು ಉಬ್ಬಿಕೊಂಡಿರುವವರ ಮಾತನ್ನಲ್ಲ ಅವರ
ಶಕ್ತಿಯನ್ನೇ ಗೊತ್ತುಮಾಡಿಕೊಳ್ಳುವೆನು. ೨೦ ದೇವರ ರಾಜ್ಯವು ಮಾತಿನಲ್ಲಿ ಇಲ್ಲ.ಶಕ್ತಿಯಲ್ಲಯೇ
ಆಧಾರಗೊಂಡಿದೆ ೨೧ ನಿಮ್ಮ ಇಷ್ಟೇನು? ಬೆತ್ತ ತೆಗೆದುಕೊಂಡು ನಿಮ್ಮಬಳಿಗೆ ಬರಲೋ?
ಪ್ರೀತಿಯಿಂದಲೂ ಸೌಮ್ಯದಿಂದಲೂ ಕೂಡಿದವನಾಗಿ ಬರಲೋ?

## ಸಭೆಯಲ್ಲಿ ನಡೆದಿದ್ದ ವಿಪರೀತ ಜಾರತ್ವವನ್ನು ಕುರಿತದ್ದು.

೫ ೧ ನಿಮ್ಮಲ್ಲಿ ಜಾರತ್ವವುಂಟೆಂದು ಜನರು ಸಾದಾರಣವಾಗಿ ಹೇಳುತ್ತಾರೆ. ಒಬ್ಬನು ತನ್ನ
ಅಪ್ಪನ ಹೆಂಡತಿಯನ್ನು ಇಟ್ಟುಕೊಂಡಿದ್ದಾನಂತೆ.ಅಂಥ ಜಾರತ್ವವು ಅನ್ಯಜನರಲ್ಲಿಯೂ ಇಲ್ಲ.
೨ ಹೀಗಿದ್ದರೂ ನೀವು ದುಃಖವನ್ನು ತೋರಿಸದೆ ಈ ಕಾರ್ಯಮಾಡಿದವನನ್ನು ನಿಮ್ಮೊಳಗೆ
ಬಹಿಷ್ಕರಿಸದೆ ಉಬ್ಬಿಕೊಂಡೇ ಇದ್ದಿರಲ್ಲಾ. ೩ ನಾನಂತೂ ದೇಹದಿಂದ ದೂರವಾಗದ್ದರೂ ಆತ್ಮದಿಂದ
ಹತ್ತಿರದಲ್ಲಿದ್ದುಈ ಕಾರ್ಯ ಮಾಡಿದವನನ್ನು ಕುರಿತು ಆಗಲೇ ಹತ್ತಿರ ವಿದ್ದವನಂತೆ ತೀರ್ಪು
ಮಾಡಿದ್ದೇನಂದರೆ, ೪ ನೀವೂ ನನ್ನಾತ್ಮನೂ ಕರ್ತನಾದ ಯೇಸುವಿನ ಸಾಮರ್ಥ್ಯ ಸಹಿತ ಒಟ್ಟು
ಗೂಡಿ ಬಂದಿರಲಾಗಿ ೫ ಕರ್ತನಾದ ಯೇಸುವಿನ ಪ್ರತ್ಯಕ್ಷತೆಯ ದಿನದಲ್ಲಿ ಅಂಥವನ ಆತ್ಮವು ರಕ್ಷಣೆ
ಹೊಂದುವದಕ್ಕಾಗಿ ಅವನ ಶರೀರಭಾವವು ನಾಶವಾಗಬೇಕೆಂದು ನಮ್ಮ ಕರ್ತನಾದ ಯೇಸುವಿನ
ಹೆಸರಿನಲ್ಲಿ ಅವನನ್ನು ಸೈತಾನನಿಗೆ ಒಪ್ಪಿಸಿಕೊಡಬೇಕೆಂಬದೇ. ೬ ನೀವು ಹಿಗ್ಗುವದು
ಒಳ್ಳೆದಲ್ಲ. ಸ್ವಲ್ಪ ಹುಳಿ ಕಲಿಸಿದರೆ ಕಣಕವೆಲ್ಲ ಹುಳಿಯಾಗುತ್ತದೆಂಬದು ನಿಮಗೆ ತಿಳಿಯದೋ
? ೭ ನೀವು ಹುಳಿಯಿಲ್ಲದವರೆನಿಸಿಕೊಂಡದ್ದರಿಂದ ಹಳೆ ಹುಳಿಯನ್ನು ತೆಗೆದುಹಾಕಿ
ಹೊಸ ಕಣಕದಂತಾಗಿರ್ರಿ. ಯಾಕಂದರೆ ನಮ್ಮ ಪಸ್ಕದ ಯಜ್ಞದ ಕುರಿಯು ಕೊಯಿದದೆ.
ಅದಾವದೆಂದರೆ ಕ್ರಿಸ್ತನೇ. ೮ ಆದಕಾರಣ ನಾವು ಹಳೇ ಹುಳಿಯನ್ನು ಅಂದರೆ ದುರ್ಮಾರ್ಗತ್ವ
ದುಷ್ಟತ್ವ ಎಂಬ ಹುಳಿಯನ್ನು ಇಟ್ಟುಕೊಳ್ಳದೇ ಸರಳತೆ ಸತ್ಯತೆ ಎಂಬ ಹುಳಿಯಿಲ್ಲದ ರೊಟ್ಟಿಯನ್ನೇ
ತೆಗೆದುಕೊಂಡು ಹಬ್ಬವನ್ನು ಆಚರಿಸೋಣ.
೯ ಜಾರರ ಸಹವಾಸ ಮಾಡಬಾರದೆಂದು ನನ್ನ ಪತ್ರಿಕೆಯಲ್ಲಿ ಬರೆದಿದ್ದೆನಷ್ಟೆ. ೧೦ ಈ
ಲೋಕದಲ್ಲಿರುವ ಜಾರರು ಲೋಭಿಗಳು ಸುಲುಕೊಳ್ಳುವವರು. ವಿಗ್ರಹಾರಾಧಕರು, ಇವರ
ಸಹವಾಸವನ್ನು ಬಿಟ್ಟುಬಿಡಬೇಕೆಂದು ನನ್ನ ತಾತ್ಪರ್ಯವಲ್ಲ ಹಾಗೆ ಬಿಡಬೇಕಾದರೆ ನೀವು ಈ
ಲೋಕವನ್ನೇ ಬಿಟ್ಟುಹೋಗಬೇಕಾಗುವದು. ೧೧ ಆದರೆ ಕ್ರೈಸ್ತ ಸಹೋದರನೆನಿಸಿಕೊಂಡವನು
ಜಾರನಾದರೂ ಲೋಬಿಯಾದರೂ ವಿಗ್ರಹಾರಾಧಕನಾದರೂ ಬೈಯುವವನಾದರೂ ಕುಡಿಕನಾದರೂ
ಸುಲುಕೊಳ್ಳುವವನಾದರೂ ಆಗಿದ್ದ ಪಕ್ಷದಲ್ಲಿ ಅವನ ಸಹವಾಸ ಮಾಡಬಾರದು. ಅಂಥವನ ಸಂಗಡ
ಊಟಮಾಡಲೂ ಬಾರದು ಎಂದು ಬರೆದಿದ್ದೇನೆ. ೧೨ ಹೊರಗಿನವರನ್ನು ತೀರ್ಪುಮಾಡುವದಕ್ಕೆ
ನನಗೇನಧಿಕಾರ? ಒಳಗಿನವರನ್ನು ತೀರ್ಪುಮಾಡುವವರು ನೀವು ಅಲ್ಲವೇ ೧೩ ಹೊರಗಿನವರನ್ನು
ತೀರ್ಪುಮಾಡುವವನು ದೇವರು. ಆ ದುಷ್ಟನನ್ನು ನಿಮ್ಮ ಮಧ್ಯದಿಂದ ತೆಗೆದುಹಾಕಬೇಕು.

## ಕ್ರೈಸ್ತರು ಕ್ರೈಸ್ತರಲ್ಲದವರ ಮುಂದೆ ವ್ಯಾಜ್ಯವಾಡಿದ್ದನ್ನು ಕುರಿತದ್ದು.

೬ ೧ ನಿಮ್ಮಲ್ಲಿ ಒಬ್ಬನಿಗೆ ಮತ್ತೊಬ್ಬನ ಮೇಲೆ ವ್ಯಾಜ್ಯವಿದ್ದರೆ ನ್ಯಾಯವಿಚಾರಣೆಗೆ
ದೇವಜನರ ಮುಂದೆ ಹೋಗದೇ ಅನ್ಯಜನರ ಮುಂದೆ ಹೋಗುವದಕ್ಕೆ ಅವನಿಗೆ
ಧೈರ್ಯವುಂಟೋ? ೨ ದೇವಜನರು ಲೋಕಕ್ಕೆ ತೀರ್ಪುಮಾಡುವರೆಂಬದು ನಿಮಗೆ
ತಿಳಿಯದೋ? ಲೋಕವು ನಿಮ್ಮಿಂದ ತೀರ್ಪನ್ನು ಹೊಂದಬೇಕಾಗಿರುವಲ್ಲಿ ಅತ್ಯಲ್ಪ ಸಂಗತಿಗಳನ್ನು
ಕುರಿತು ತೀರ್ಪುಮಾಡುವದಕ್ಕೆ ಅಯೋಗ್ಯರಾಗಿದ್ದೀರೋ? ೩ ನಾವು ದೇವದೂತರಿಗೂ
ತೀರ್ಪುಮಾಡುವೆವೆಂಬದು ನಿಮಗೆ ತಿಳಿಯದೋ? ಐಹಿಕ ಜೀವದ ಕಾರ್ಯಗಳನ್ನು ಕುರಿತು
ನಾವು ತೀರ್ಪು ಮಾಡುವದು ದೊಡ್ಡದೋ ? ೪ ಐಹಿಕಜೀವಸಂಬಧದಲ್ಲಿ ನಿರ್ಣಯಿಸತಕ್ಕ
ಕಾರ್ಯಗಳು ನಿಮ್ಮಲ್ಲಿದ್ದರೆ ತೀರ್ಪು ಮಾಡುವದಕ್ಕೆ ಸಭೆಯಲ್ಲಿ ಗಣನೆಗೆ ಬಾರದವರನ್ನು
ಕುಳ್ಳಿರಿಸಿಕೊಳ್ಳುತ್ತೀರೋ? ೫ ನಿಮ್ಮಲ್ಲಿ ನಾಚಿಕೆ ಹುಟ್ಟಿಸುವದಕ್ಕೆ ಇದನ್ನು ಹೇಳುತ್ತೇನೆ.
ಏನು ತನ್ನ ಸಹೋದರರ ಮಧ್ಯದಲ್ಲಿ ನ್ಯಾಯವನ್ನು ಬಗೆಹರಿಸಬಲ್ಲವನಾದ ಜಾಣನು ನಿಮ್ಮಲ್ಲಿ
ಒಬ್ಬನಾದರೂ ಇಲ್ಲವೋ? ೬ ಸಹೋದರನು ಸಹೋದರನ ಮೇಲೆ ವ್ಯಾಜ್ಯವಾಡುವದು
ಅಲ್ಲದೆ ಅದನ್ನು ಕ್ರಿಸ್ತ ಭಕ್ತರಲ್ಲದವರ ಮುಂದೆ ತೆಗೆದುಕೊಂಡು ಹೋಗುವದು ಸರಿಯೋ?

ನಿಮ್ಮ ನಿಮ್ಮಲ್ಲಿ ವ್ಯಾಜ್ಯವಾಡುವದೇ ನೀವು ಸೋತವರೆಂಬದಕ್ಕೆ ಗುರುತು. ೭ ಅದಕ್ಕಿಂತ
ಅನ್ಯಾಯವನ್ನು ಯಾಕೆ ಸಹಿಸಬಾರದು ಆಸ್ತಿಯ ನಷ್ಟವನ್ನು ಯಾಕೆ ತಾಳಬಾರದು. ? ೮ ಆದರೆ
ನೀವು ಅನ್ಯಾಯ ಮಾಡುತ್ತೀರಿ. ಆಸ್ತಿಯನ್ನು ಅಪಹರಿಸುತ್ತೀರಿ. ಸಹೋದರರಲ್ಲಿಯೇ ಹೀಗೆ
ಮಾಡುತ್ತೀರಿ. ೯ ಅನ್ಯಾಯಗಾರರು ದೇವರ ಜಾಜ್ಯಕ್ಕೆ ಭಾಧ್ಯರಾಗುವದಿಲ್ಲವೆಂಬುದು ನಿಮಗೆ
ತೀಳಿಯದೋ? ಮೋಸಹೋಗಬೇಡಿರಿ. ಜಾರರು ವಿಗ್ರಹಾರಾಧಕರು, ವ್ಯಬಿಚಾರಿಗಳು ವಿಟರು
ಪುರುಷಗಾಮಿಗಳು ಕಳ್ಳರು, ೧೦ ಲೋಬಿಗಳು ಕುಡಿಕರು ಬೈಯುವವರು ಸುಲುಕೊಳ್ಳುವವರು
ಇವರೋಳಗೆ ಒಬ್ಬರಾದರೂ ದೇವರ ರಾಜ್ಯಕ್ಕೆ ಬಾಧ್ಯರಾಗುವದಿಲ್ಲ. ೧೧ ನಿಮ್ಮಲ್ಲಿ ಕೆಲವರು
ಅಂಥವರಾಗಿದ್ದೀರಿ. ಆದರೂ ಕರ್ತನಾದ ಯೇಸು ಕ್ರಿಸ್ತನ ಹೆಸರಿನಲ್ಲಿಯೂ ನಮ್ಮ ದೇವರ
ಆತ್ಮದಲ್ಲಿಯೂ ತೊಳೆದುಕೊಂಡಿರಿ. ದೇವಜನರಾದಿರಿ. ನೀತಿವಂತರೆಂಬ ನಿರಣಯವನ್ನು
ಹೊಂದಿದಿರಿ.

## ಜಾರತ್ವವು ಅತಿಭಯಂಕರವಾದ ಪಾಪಕೃತ್ಯ ದೇಹವು ಪವಿತ್ರಾತ್ಮನಿಗೆ ಅನುಕೂಲವಾದ ಗರ್ಭಗುಡಿಯಾಗಿರಬೇಕು ಎಂಬುವ ಬೋಧೆ.

೧೨ ಎಲ್ಲಾ ಕಾರ್ಯಗಳನ್ನು ಮಾಡುವದಕ್ಕೆ ನನಗೆ ಸ್ವಾತಂತ್ರ್ಯವುಂಟು, ಆದರೆ ಎಲ್ಲವು
ವಿಹಿತವಾಗಿರುವದಿಲ್ಲ. ಎಲ್ಲಾ ಕಾರ್ಯಗಳನ್ನು ಮಾಡುವದಕ್ಕೆ ನನಗೆ ಸ್ವಾತಂತ್ರ್ಯವುಂಟು ಆದರೆ
ನಾನು ಯಾವದಕ್ಕೂ ಒಳಗಾಗುವದಿಲ್ಲ. ೧೩ ಭೋಜನ ಪದಾರ್ಥಗಳು ಹೊಟ್ಟೆಗಾಗಿಯೂ ಹೊಟ್ಟೆಯು
ಬೋಜನಪದಾರ್ಥಗಳಿಗಾಗಿಯೂ ಅವೆ. ದೇವರು ಇದನ್ನೂ ಅವುಗಳನ್ನೂ ಕೂಡ ತೆಗೆದು
ಹಾಕುವನು. ಆದರೂ ದೆಹವು ಹಾದರಿಗೋಸ್ಕರ ಇರುವಂಥದಲ್ಲ. ಕರ್ತನಿಗೋಸ್ಕರವಾಗಿದೆ.ಕರ್ತನು
ದೇಹಕ್ಕೋಸ್ಕರ ಇದ್ದಾನೆ. ೧೪ ದೇವರು ಕರ್ತನನ್ನು ಎಬ್ಬಿಸಿದ್ದಲ್ಲದೆ ನಮ್ಮನ್ನೂ ತನ್ನ
ಪರಾಕ್ರಮದಿಂದ ಎಬ್ಬಿಸುವನು. ೧೫ ನಿಮ್ಮ ದೇಹಗಳು ಕ್ರಿಸ್ತನ ಅಂಗಗಳಾಗಿವೆ ಎಂಬುದು
ನಿಮಗೆ ತಿಳಿಯದೋ? ಹೀಗಿರಲಾಗಿ ಕ್ರಿಸ್ತನ ಅಂಗಗಳಾಗಿರುವಂಥವುಗಳನ್ನು ತೆಗೆದುಬಿಟ್ಟು
ಸೂಳೆಯ ಅಂಗಗಳಾಗ ಮಾಡಬಹುದೋ? ಎಂದಿಗೂ ಮಾಡಬಾರದು ೧೬ ಸೂಳೆಯ ಸಮಸರ್ಗ
ಮಾಡುವವನುಅವಳೊಂದಿಗೆ ಒಂದೇ ದೇಹವಾಗಿದ್ದಾನೆಂಬದು ನಿಮಗೆ ತಿಳಿಯದೋ?
ಗಂಡಹೆಂಡರಿಬ್ಬರು ಒಂದೇ ಶರೀರವಾಗಿರುವರೆಂದು ದೇವರು ಹೇಳುತ್ತಾನಲ್ಲಾ ೧೭ ಕರ್ತನ
ಸಂಸರ್ಗದಲ್ಲಿರುವವನಾದರೋ ಆತನೊಂದಿಗೆ ಒಂದೇ ಆತ್ಮವಾಗಿದ್ದಾನೆ. ೧೮ ಜಾರತ್ವಕ್ಕೆ
ದೂರವಾಗಿ ಓಡಿಹೋಗಿರಿ.ಮನುಷ್ಯರು ಮಾಡುವ ಇತರ ಪಾಪಕೃತ್ಯಗಳು ದೇಹಕ್ಕೆ
ಹೊರಗಾಗಿವೆ.ಆದರೆ ಜಾರತ್ವ ಮಾಡುವವನು ತನ್ನ ದೇಹಕ್ಕೆ ಹಾನಿಕರವಾದ ಪಾಪವನ್ನು
ಮಾಡುತ್ತಾನೆ. ೧೯ ದೇವರಿಂದ ದೊರಕಿ ನಿಮ್ಮೊಳಗೆ ನೆಲೆಗೊಂಡಿರುವ ಪವಿತ್ರಾತ್ಮನಿಗೆ
ನಿಮ್ಮ ದೇಹವು ಗರ್ಭಗುಡಿಯಾಗಿದೆಂಬದು ನಿಮಗೆ ತಿಳಿಯದೋ? ೨೦ ನೀವು ನಿಮ್ಮ ಸ್ವಂತ
ಸೊತ್ತಲ್ಲ ನೀವು ಕ್ರಯಕ್ಕೆ ಕೊಳ್ಳಲ್ಪಟ್ಟವರು ಆದಕಾರಣ ನಿಮ್ಮ ದೇಹದಲ್ಲಿ ದೇವರ ಪ್ರಭಾವವನ್ನು
ಪ್ರಕಾಶಪಡಿಸಿರಿ.

## ಕೊರಿಂಥದವರು ಹಾಕಿದ ಪ್ರಶ್ನೆಗಳಿಗೆ ಪೌಲನು ಉತ್ತರ (೭.೧-೧೪.೪೦) ಮದುವೆಯನ್ನು ಕುರಿತದ್ದು.

೭ ೧ ನೀವು ಬರೆದ ಸಂಗತಿಯನ್ನು ಕುರಿತು ನಾನು ಹೇಳುವ ಅಭಿಪ್ರಾಯವೇನೆಂದರೆ
ಸ್ತ್ರೀ ಸಂಹರ್ಕವಿಲ್ಲದೆ ಇರುವದು ಮನುಷ್ಯನಿಗೆ ಒಳ್ಳೆದು. ೨ ಆದರೆ ಜಾರತ್ವವು
ಪ್ರಭಲವಾಗಿರುವದರಿಂದ ಪ್ರತಿಯೊಬ್ಬನಿಗೂ ಸ್ವಂತ ಹೆಂಡತಿಯು ಇರಲಿ. ಪ್ರತಿಯೊಬ್ಬಳಿಗೆ
ಸ್ವಂತ ಗಂಡನು ಇರಲಿ. ೩ ಗಂಡನು ಹೆಂಡತಿಗೆ ಸಲ್ಲತಕ್ಕದ್ದನ್ನು ಸಲ್ಲಿಸಲಿ.ಹಾಗೇಯೇ
ಹೆಂಡತಿಯು ಗಂಡನಿಗೆ ಸಲ್ಲಿಸಲಿ ೪ ಹೆಂಡತಿಗೆ ಸ್ವಂತ ದೇಹದ ಮೇಲೆ ಅಧಿಕಾರವಿಲ್ಲ.
ಅದು ಗಂಡನಿಗುಂಟು.ಹಾಗೇಯೆ ಪುರುಷನಿಗೆ ಸ್ವಂತ ದೇಹದ ಮೇಲೆ ಅಧಿಕಾರವಿಲ್ಲ ಅದು
ಹೆಂಡತಿಗುಂಟು. ೫ ಪ್ರಾರ್ಥನೆಗೆ ಮನಸ್ಸು ಕೊಡುವದಕ್ಕಾಗಿ ನೀವು ಪರಸ್ಪರ ಸಮ್ಮತಿಯಿಂದ
ಸ್ವಲ್ಪ ಕಾಲ ದಂಪತಿ ಧರ್ಮವನ್ನು ಬಿಟ್ಟು ಅಗಲಿರಬಹುದೇ ಹೊರತು ಅನ್ಯತಾ ಹಾಗೆ
ಮಾಡಬಾರದು. ಆ ಮೇಲೆ ಸೈತಾನನು ನಿಮಗೆ ದಮೆಯಿಲ್ಲದಿರುವದನ್ನು ನೋಡಿ ನಿಮಗೆ
ದುಷ್ಪ್ರೇರಣೆಮಾಡದಂತೆ ತಿರಿಗಿ ಕೂಡಿಕೊಳ್ಳಿರಿ. ೬ ಹೀಗೆ ಮಾಡಬಹುದೆಂದು ಹೇಳುವದು
ಹಿತೋಪದೇಶವೇ ಹೊರತು ಆಜ್ಞೆಯಲ್ಲ. ೭ ನಾನಿರುವಂತೆಯೇ ಎಲ್ಲಾ ಮನುಷ್ಯರು
ಇರಬೇಕೆಂಬದು ನನ್ನ ಇಷ್ಟ ಆದರೆ ಒಬ್ಬನು ಒಂದು ವಿಧವಾಗಿ ಮತ್ತೊಬ್ಬನು ಇನ್ನೊಂದು ವಿಧವಾಗಿ
ದೇವರಿಂದ ವರವನ್ನು ಹೊಂದಿಕೊಂಡಿದ್ದಾರೆ.

೮ ಮದುವೆಯಿಲ್ಲದವರನ್ನು ವಿದವೆಯರನ್ನೂ ಕುರಿತು ನಾನು ಹೇಳುವದೇನೆಂದರೆ
ನಾನಿರುವಂತೆಯೆ ಇರುವದು ಅವರಿಗೆ ಒಳ್ಳೇದು. ಅವರು ದಮೆಯಿಲ್ಲದವರಾದರೆ
ಮದುವೆಮಾಡಿಕೊಳ್ಳಲಿ ೯ ಅವರು ದಮೆಯಿಲ್ಲದವರಾದರೆ ಮದುವೆಮಾಡಿಕೊಳ್ಳಲಿ
ಕಾಮತಾಪಪಡುವದಕ್ಕಿಂತ ಮದುವೆಮಾಡಿಕೊಳ್ಳುವದು ಉತ್ತಮವಷ್ಟೆ.
೧೦ ಮದುವೆಮಾಡಿಕೊಂಡವರಿಗೆ ನನ್ನ ಅಪ್ಪಣೆ ಮಾತ್ರವಲ್ಲದೆ ಕರ್ತನ ಅಪ್ಪಣೆಯು
ಏನೆಂದರೆ- ಹೆಂಡತಿಯು ಗಂಡನನ್ನು ಬಿಟ್ಟು ಅಗಲಬಾರದು. ೧೧ ಒಂದು ವೇಳೆ ಅಗಲಿದರೂ
ಪುರುಷಸಹವಾಸವಿಲ್ಲದೆ ಇರಬೇಕು. ಇಲ್ಲವೆ ಗಂಡನ ಸಂಗಡ ಸಮಾದಾನವಾಗಬೇಕು ಮತ್ತು
ಗಂಡನು ಹೆಂಡತಿಯನ್ನು ಬಿಡಬಾರದು.
೧೨ ಮಿಕ್ಕಾದವರ ವಿಷಯದಲ್ಲಿ ಕರ್ತನ ಮಾತು ಇಲ್ಲವಾದರೂ ನನ್ನ ಅಭಿಪ್ರಾಯವೇನೆಂದರೆ
- ಒಬ್ಬ ಸಹೋದರನಿಗೆ ಕ್ರಿಸ್ತನಂಬಿಕೆಯಿಲ್ಲದ ಹೆಂಡತಿಯಿರಲಾಗಿ ಆಕೆ ಅವನೊಂದಿಗೆ
ಒಗೆತನ ಮಾಡುವದಕ್ಕೆ ಸಮ್ಮತಿಸಿದರೆ ಅವನು ಆಕೆಯನ್ನು ಬಿಡಬಾರದು. ೧೩ ಒಬ್ಬಸ್ತ್ರೀಗೆ
ಕ್ರಿಸ್ತನಂಬಿಕೆಯಿಲ್ಲದ ಗಂಡನಿರಲಾಗಿ ಅವನು ಆಕೆಯೊಂದಿಗೆ ಒಗೆತನ ಮಾಡುವದಕ್ಕೆ
ಸಮ್ಮತಿಸಿದರೆ ಆಕೆಯು ಅವನನ್ನು ಬಿಡಬಾರದು. ೧೪ ಯಾಕಂದರೆ ಕ್ರಿಸ್ತನಂಬಿಕೆಯಿಲ್ಲದ
ಗಂಡನು ತನ್ನ ಹೆಂಡತಿಯಲ್ಲಿ ದೇವಜನಕ್ಕೆ ಸಂಬಂಧಪಟ್ಟವನಾದನುಮತ್ತು ಕ್ರಿಸ್ತನಂಬಿಕೆಯಿಲ್ಲದ
ಹೆಂಡತಿಯು ನಿಮ್ಮ ಸಹೋದರನಾದ ತನ್ನ ಗಂಡನಲ್ಲಿ ದೇವಜನಕ್ಕೆ ಸಂಬಂಧಪಟ್ಟವಳಾದಳು.
ಹಾಗಲ್ಲದಿದ್ದರೆ ನಿಮ್ಮ ಮಕ್ಕಳು ಅಪವಿತ್ರರಾಗುತ್ತಿದ್ದರು. ಈಗಲಾದರೋ ಅವರು ದೇವಜನರಲ್ಲಿ
ಸೇರಿದವರೇ ಆಗಿದ್ದಾರೆ. ೧೫ ಆದರೆ ಕ್ರಿಸ್ತನಂಬಿಕೆಯಿಲ್ಲದವನು ಅಗಲಬೇಕೆಂದಿದ್ದರೆ
ಅಗಲಿಹೋಗಲಿ ಇಂಥಾ ಸಂದರ್ಭಗಳಲ್ಲಿ ಕ್ರೈಸ್ತಸಹೋದರನಾಗಲಿ ಸಹೋದರಿಯಾಗಲಿ
ಬದ್ದರಲ್ಲ. ಸಮಾದಾನದಲ್ಲಿರಬೇಕೆಂದು ದೇವರು ನಮ್ಮನ್ನು ಕರೆದಿದ್ದಾನೆ. ೧೬ ಏಲೈ ಸ್ತ್ರೀಯೇ ನಿನ್ನ
ಗಂಡನನ್ನು ರಕ್ಷಿಸುವಯೋ ಏನೋ ನಿನಗೇನು ಗೊತ್ತು? ಎಲೈ ಪುರುಷನೇ ನಿನ್ನ ಹೆಂಡತಿಯನ್ನು
ರಕ್ಷಿಸುವಿಯೋ ಏನೋ ನಿನಗೇನು ಗೊತ್ತು?
೧೭ ಆದರೂ ಕರ್ತನು ಪ್ರತಿಯೊಬ್ಬನಿಗೆ ಯಾವ ಯವ ಸ್ಥಿತಿಯನ್ನು ನೇಮಿಸಿದ್ದಾನೋ
ಅಂದರೆ ದೇವರು ಕರೆಯುವಾಗ ಪ್ರತಿಯೊಬ್ಬನು ಯಾವ ಯಾವ ಸ್ಥಿತಿಯಲ್ಲಿ ಆಯಾ
ಸ್ತಿತಿಗೆ ಸರಿಯಾಗಿ ನಡೆದುಕೊಳ್ಳಲಿ. ಹೀಗೆ ಎಲ್ಲಾ ಸಭೆಗಳಲ್ಲಿಯೂ ಆಜ್ಞಾಪಿಸುತ್ತೇನೆ.
೧೮ ದೇವರು ಕರೆದ ಕಾಲದಲ್ಲಿ ಯಾವನಾದರೂ ಸುನ್ನತಿಯುಳ್ಳವನಾಗಿದ್ದನೋ
ಅವನು ಸುನ್ನತಿಯಿಲ್ಲದವನಂತಾಗಬಾರದು. ದೇವರು ಕರೆದಾಗ ಯಾವನಾದರೂ
ಸುನ್ನತಿಯಿಲ್ಲದವನಾಗಿದ್ದಾನೋಅವನು ಸುನ್ನತಿಮಾಡಿಸಿಕೊಳ್ಳಬಾರದು. ೧೯ ಸುನ್ನತಿ ಇದ್ದರೂ
ಪ್ರಯೋಜನವಿಲ್ಲ. ಸುನ್ನತಿ ಇಲ್ಲದಿದ್ದರೂ ಪ್ರಯೋಜನವಿಲ್ಲ. ದೇವರ ಕಟ್ಟಳೆಗಳನ್ನು ಅನುಸರಿಸಿ
ನಡೆಯುವದೇ ಪ್ರಯೋಜನವಾಗಿದೆ. ೨೦ ದೇವರು ಕರೆದಾಗ ಪ್ರತಿಯೊಬ್ಬನು ಯಾವ
ಸ್ಥಿತಿಯಲ್ಲಿದ್ದವೋ ಆ ಸ್ಥಿತಿಯಲ್ಲಿಯೇ ಇರಬೇಕು. ೨೧ ದೇವರು ಕರೆದಾಗ ನೀನು ಮತ್ತೊಬ್ಬನ
ದಾಸನಾಗಿದ್ದೀಯೋ? ಅದಕ್ಕೆ ಚಿಂತೆಮಾಡಬೇಡ ಆದರೆ ಬಿಡುಗಡೆಹೊಂದುವದಕ್ಕಾಗಿ ನಿನ್ನ
ಕೈಯಿಂದಾದರೆ ಸ್ವತಂತ್ರವಾಗುವದೇ ಉತ್ತಮ. ೨೨ ಯಾವನು ಮತ್ತೊಬ್ಬನ ದಾಸನಾಗಿದ್ದು ಕರ್ತನ
ಸೇವೆಗೆ ಕರೆಯಲ್ಪಟ್ಟಿರುವನೋ ಅವನು ಕರ್ತನ ಮೂಲಕ ಬಿಡುಗಡೆ ಹೊಂದಿರುವ ಸ್ವತಂತ್ರನು.
ಅದೇ ಪ್ರಕಾರ ಯವನು ಸ್ವತಂತ್ರನಾಗಿದ್ದು ಕರೆಯಲ್ಪಟ್ಟಿರುವನೋ ಅವನು ಕ್ರಿಸ್ತನಿಗೆ ದಾಸನು.
೨೩ ನೀವು ಕ್ರಯಕ್ಕೆ ಕೊಳ್ಳಲ್ಪಟ್ಟವರು. ಮನುಷ್ಯರಿಗೆ ದಾಸರಾಗಬೇಡಿರಿ. ೨೪ ಸಹೋದರರೇ
ಪ್ರತಿಯೊಬ್ಬನು ಕರೆಯಲ್ಪಟ್ಟಾಗ ಯಾವ ಸ್ಥಿತಿಯಲ್ಲಿದ್ದನೋ ಅದೇ ಸ್ಥಿತಿಯಲ್ಲಿ ದೇವರ ಮುಂದೆ
ಇದ್ದುಕೊಂಡಿರಲಿ.
೨೫ ಕನ್ನಿಕೆಯರನ್ನು ಕುರಿತು ಕರ್ತನಿಂದ ಬಂದ ಆಜ್ಞೆ ನನಗೆ ಯಾವದೂ ಇಲ್ಲ.
ಆದರೆ ನಂಬಿಗಸ್ತನಾಗಿರುವದಕ್ಕೆ ಕರ್ತನಿಂದ ಕರುಣೆಯನ್ನು ಹೊಂದಿದವನಾಗಿ ನನ್ನ
ಅಭಿಪ್ರಾಯವನ್ನು ಹೇಳುತ್ತೇನೆ. ೨೬ ಈಗಿನ ಕಷ್ಟ ಕಾಲದ ನಿಮಿತ್ತ ಜನರು ಇದ್ದ ಹಾಗೇ
ಇರುವದು ಒಳ್ಳೇದೆಂದು ಭಾವಿಸುತ್ತೇನೆ. ೨೭ ಹೆಂಡತಿಯನ್ನು ಕಟ್ಟಿಕೊಂಡಿದ್ದೀಯೋ?
ಬಿಡುಗಡೆಯಾಗುವದಕ್ಕೆ ಪ್ರಯತ್ನಿಸಬೇಡ. ಹೆಂಡತಿಯನ್ನು ಕಟ್ಟಿಲ್ಲದವನಾಗಿದ್ದೀಯೋ?
ಹೆಂಡತಿಯನ್ನು ದೊರಕಿಸಿಕೊಳ್ಳುವದಕ್ಕೆ ಪ್ರಯತ್ನಿಸಬೇಡ. ೨೮ ಒಂದು ವೇಳೆ ನೀನು
ಮದುವೆ ಮಾಡಿಕೊಂಡರೂ ಪಾಪವಿಲ್ಲ.ಕನ್ನಿಕೆಯು ಮದುವೆ ಮಾಡಿಕೊಂಡರೂ
ಪಾಪವಿಲ್ಲ. ಆದರೆ ಮದುವೆಮಾಡಿಕೊಂಡವರಿಗೆ ಶರೀರ ಸಂಭಮಧವಾಗಿ ಕಷ್ಟ
ಸಂಭವಿಸುವದು.ಇದು ನಿಮಗೆ ಉಂಟಾಗಬಾರದೆಂದು ನನ್ನ ಅಪೇಕ್ಷೇ. ೨೯ ಸಹೋದರರೇ, ನಾನು

ಹೇಳುವದೇನಂದರೆ, ಸಮಯವು ಸಂಕೋಚವಾದದರಿಂದ ಇನ್ನು ಮೇಲೆ ಹೆಂಡತಿಯುಳ್ಳವನು
ಹೆಂಡತಿಯಿಲ್ಲದವರಂತೆಯೂ ಅಳುವವರು ಅಳದಂತೆಯೂ ೩೦ ಸಂತೋಷಪಡುವವರು
ಸಂತೋಷಪಡದವರಂತಯೂ, ಕೊಂಡುಕೋಳ್ಳುವವರು ಕೊಂಡದ್ದು ತಮ್ಮದೇ ಎಂದು
ಹೇಳದವರಂತೆಯೂ ೩೧ ಲೋಕವನ್ನು ಅನುಭೋಗಿಸುವವರು ಅದನ್ನು ಪರಿಪೂರ್ಣವಾಗಿ
ಅನುಭೋಗಿಸದವರಂತೆಯೂ ಇರಬೇಕು. ಯಾಕಂದರೆ ಈ ಪ್ರಪಂಚದ ತೋರಿಕೆಯು
ಗತಿಸಿ ಹೋಗುತ್ತಾ ಅದೆ. ೩೨ ಆದರೆ ನೀವು ಚಿಂತೆಯಿಲ್ಲದವರಾಗಿರಬೇಕೆಂಬದೇ
ನನ್ನ ಇಷ್ಟ. ಮದುವೆಯಿಲ್ಲದವನು ತಾನು ಕರ್ತನನ್ನು ಹೇಗೆ ಮೆಚ್ಚಿಸಬೇಕೆಂದು ಕರ್ತನ
ಕಾರ್ಯಗಳನ್ನು ಕುರಿತು ಚಿಂತಿಸುತ್ತಾನೆ. ೩೩ ಮದುವೆಯಾದವನು ತನ್ನ ಹೆಂಡತಿಯನ್ನು
ಹೇಗೆ ಮೆಚ್ಚಿಸಬೇಕೆಂದು ಪ್ರಪಂಚದ ಕಾರ್ಯಗಳನ್ನು ಕುರಿತು ಚಿಂತಿಸುತ್ತಾನೆ. ೩೪ ಅದರಂತೆ
ಮುತ್ತೈದೆಗೂ ಕನ್ನಿಕೆಗೂ ವ್ಯತ್ಯಾಸವುಂಟು. ಮದುವೆಯಿಲ್ಲದವಳು ತಾನು ದೇಹಾತ್ಮಗಳಲ್ಲಿ
ಪವಿತ್ರಳಾಗಿರಬೇಕೆಂದು ಕರ್ತನ ಕಾರ್ಯಗಳನ್ನು ಕುರಿತು ಚಿಂತಿಸುತ್ತಾಳೆ. ೩೫ ಆದರೆ
ಮದುವೆಯಾದವಳು ತನ್ನ ಗಂಡನನ್ನು ಹೇಗೆ ಮೆಚ್ಚಿಸಬೇಕೆಂದು ಪ್ರಪಂಚದ ಕಾರ್ಯಗಳನ್ನು
ಕುರಿತು ಚಿಂತಿಸುತ್ತಾಳೆ. ನಾನು ನಿಮಗೆ ಉರ್ಲು ಹಾಕಬೇಕೆಂದು ಇದನ್ನು ಹೇಳುವದಿಲ್ಲ.
ನೀವು ಸಜ್ಜನರಿಗೆ ತಕ್ಕ ಹಾಗೆ ನಡೆದು ಭಿನ್ನ ಭಾವವಿಲ್ಲದೆ ಕರ್ತನಿಗೆ ಪಾದಸೇವೆಯನ್ನು
ಮಾಡುವವರಾಗಬೇಕೆಂದು ನಿಮ್ಮ ಹಿತಕ್ಕೋಸ್ಕರವೇ ಹೇಳುತ್ತೇನೆ. ೩೬ ಒಬ್ಬನು ತನ್ನ ಮಗಳಿಗೆ
ಮದುವೆಯಿಲ್ಲದಿರುವದು ಮರ್ಯಾದೆಯಲ್ಲವೆಂದು ಭಾವಿಸಿದರೆ ಮತ್ತು ಆಕೆಯ ಪ್ರಾಯ
ಕಳೆದುಹೋಗುತ್ತದಲ್ಲಾ ಮದುವೆಯಾಗುವದು ಅವಶ್ಯವೆಂದು ಅವನಿಗೆ ಕಂಡರೆ ತನ್ನಿಷ್ಟದಂತೆ
ಮಾಡಲಿ. ಅವನು ಪಾಪಮಾಡುವದಿಲ್ಲ. ಮದುವೆಮಾಡಿಕೊಳ್ಳಲಿ. ೩೭ ಆದರೆ ಒಬ್ಬನು
ದೃಡಚಿತ್ತನಾಗಿದ್ದು ಬಲವಂತವೇನೂ ಇಲ್ಲದೆ ತನ್ನಿಷ್ಟವನ್ನು ನಡಿಸುವದಕ್ಕೆ ಹಕ್ಕುಳ್ಳವನಾಗಿ ತನ್ನ
ಮಗಳನ್ನು ಮದುವೆಮಾಡಿಕೊಡುವದಿಲ್ಲವೆಂದು ಅನ್ನೊಳಗೆ ನಿರ್ಣಯಿಸಿ ಕೊಂಡರೆ ಅವನು
ಹಾಗೆ ಮಾಡುವದು ಒಳ್ಳೇದು. ೩೮ ಹಾಗಾದರೆ ತನ್ನ ಮಗಳನ್ನು ಮದುವೆಮಾಡಿಕೊಡುವವನು
ಒಳ್ಳೇದನ್ನು ಮಾಡುತ್ತಾನೆ ಮದುವೆಮಾಡಿಕೊಡದೆ ಇರುವವನು ಇನ್ನೂ ಒಳ್ಳೇದನ್ನು
ಮಾಡುತ್ತಾನೆ. ೩೯ ಮುತ್ತೈದೆಯು ತನ್ನ ಗಂಡನು ಜೀವದಿಂದಿರುವ ತನಕ ಅವನಿಗೆ
ಬದ್ಧಳಾಗಿದ್ದಾಳೆ. ಗಂಡನು ಸತ್ತಿದ್ದರೆ ಆಕೆಯು ಬೇಕಾದವನನ್ನು ಮದುವೆಮಾಡಿಕೊಳ್ಳುವದಕ್ಕೆ
ಸ್ವತಂತ್ರಳಾಗಿದ್ದಾಳೆ. ಆದರೆ ಈ ಕಾರ್ಯವು ಕರ್ತನ ಶಿಷ್ಯರಿಗೆ ತಕ್ಕಂತೆ ನಡೆಯಲಿ. ೪೦ ಆದರೂ
ಮದುವೆಮಾಡಿಕೊಳ್ಳುವದಕ್ಕಿಂತಲೂ ಇದ್ದ ಹಾಗೆಯೇ ಇರುವದು ಆಕೆಗೆ ಸುಖವೆಂದು ನನ್ನ
ಅಭಿಪ್ರಾಯ. ನನಗೂ ದೇವರ ಆತ್ಮವುಂಟೆಂದು ನೆನಸುತ್ತೇನೆ.

ವಿಗ್ರಹಾರಾಧನೆಯ ಗೊಡವೆಗೆ ಹೋಗುವದನ್ನು ಕುರಿತದ್ದು.

(೮. ೧-೧೧. ೧)

ವಿಗ್ರಹಕ್ಕೆ ಅರ್ಪಿತವಾದದ್ದನ್ನು ಉಣ್ಣುವದು ದೋಷವಲ್ಲದಿದ್ದರೂ ಕೆಲವು ಸಂಧರ್ಬಗಳಲ್ಲಿ
ಇತರರಿಗೋಸ್ಕರ ಉಣ್ಣದೆ ಇರುವದು ಉತ್ತಮವೆಂಬ ಬೋಧನೆ.

೮ ೧ ವಿಗ್ರಹಕ್ಕೆ ನೈವೇದ್ಯ ಮಾಡಿ ಪದಾರ್ಥಗಳ ವಿಷಯದಲ್ಲಿ ಈಗ ನೋಡೋಣ.
ನಮ್ಮೆಲ್ಲರಿಗೆ ಜ್ಞಾನವುಂಟೆಂದು ಬಲ್ಲೆವು. ಜ್ಞಾನವು ಉಬ್ಬಿಸುತ್ತದೆ. ಪ್ರೀತಿಯು
ಭಕ್ತಿವೃದ್ಧಿಯನ್ನುಂಟುಮಾಡುತ್ತದೆ. ೨ ಇಂಥಿಂಥದ್ದನ್ನು ತಿಳುಕೊಂಡಿದ್ದೇನೆಂದು ನೆನಸಿದವನು
ತಾನು ತಿಳಿಯಬೇಕಾದ ರೀತಿಯಿಂದ ಇನ್ನೂ ತಿಳುಕೊಳ್ಳಲಿಲ್ಲ. ೩ ಆದರೆ ಯಾವನು ದೇವರನ್ನು
ಪ್ರೀತಿಸುತ್ತಾನೋ ಅವನನ್ನೇ ದೇವರು ತಿಳುಕೊಳ್ಳುತ್ತಾನೆ. ೪ ವಿಗ್ರಹಗಳಿಗೆ ನೈವೇದ್ಯ ಮಾಡಿದ
ಪದಾರ್ಥಗಳನ್ನು ತಿನ್ನುವದರ ವಿಷಯದಲ್ಲಿ ನಾನು ಹೇಳುವುದೇನಂದರೆ, ಜಗತ್ತಿನಲ್ಲಿ ವಿಗ್ರಹವು
ಏನೂ ಅಲ್ಲವೆಂದೂ ಒಬ್ಬ ದೇವರಿದ್ದಾನೆ. ಹೊರತು ಬೇರೆ ದೇವರಿಲ್ಲವೆಂದೂ ಬಲ್ಲೆವು.
೫ ಅನೇಕರನ್ನು ದೇವರುಗಳೆಂದೂ ಕರ್ತರೆಂದೂ ಪೂಜಿಸುವದುಂಟು ನಿಜವೆ. ಆಕಾಶದಲ್ಲಿಯಾಗಲಿ
ಭೂಮಿಯ ಮೇಲಾಗಲಿ ದೇವರುಗಳೆನಿಸಿಕೊಳ್ಳುವವರಿದ್ದಾರೆ. ೬ ನಮಗಾದರೋ ಒಬ್ಬನೇ
ದೇವರಿದ್ದಾನೆ. ಆತನು ತಂದೆಯೆಂಬಾತನು. ಆತನು ಸಮಸ್ತಕ್ಕೂ ಮೂಲಕಾರಣವು. ನಾವು
ಆತನಿಗಾಗಿ ಉಂಟಾದೆವು. ಮತ್ತು ನಮಗೆ ಒಬ್ಬನೇ ಕರ್ತ. ಆತನು ಯೇಸು ಕ್ರಿಸ್ತನೇ. ಆತನ
ಮುಖಾಂತರ ಸಮಸ್ತವೂ ಉಂಟಾಯಿತು. ನಾವೂ ಆತನ ಮುಖಾಂತರ ಉಂಟಾದೆವು. ೭ ಆದರೆ
ಈ ಜ್ಞಾನವು ಎಲ್ಲರಲ್ಲಿಯೂ ಇಲ್ಲ. ಕೆಲವರು ಈ ವರೆಗೂ ವಿಗ್ರಹದ ಬಳಿಗೆ ಹೋಗುವ

ರೂಢಿಯಲ್ಲಿದ್ದದರಿಂದ ತಾವು ತಿನ್ನುವ ಪದಾರ್ಥಗಳನ್ನು ವಿಗ್ರಹಕ್ಕೆ ನೈವೇದ್ಯ ಮಾಡಿದ್ದೆಂದು
ತಿನ್ನುತ್ತಾರೆ. ಹೀಗೆ ಅವರ ಮನಸ್ಸು ಬಲಹೀನವಾಗಿದ್ದು ಕಲೆಯನ್ನು ಹೊಂದುತ್ತದೆ. ೮ ಆದರೆ
ಆಹಾರವು ನಮ್ಮನ್ನು ದೇವರ ಸನ್ನಿಧಿಗೆ ಸೇರಿಸಲಾಗದು. ತಿನ್ನದಿದ್ದರೆ ನಮಗೆ ಕಡಿಮೆಯಿಲ್ಲ.
ತಿಂದರೆ ನಮಗೆ ಹೆಚ್ಚಿಲ್ಲ. ೯ ಆದರೂ ಈ ನಿಮ್ಮ ಸ್ವಾತಂತ್ರ್ಯವು ನಂಬಿಕೆಯಲ್ಲಿ ಬಲವಿಲ್ಲದವರಿಗೆ
ಒಂದು ವೇಳೆ ವಿಘ್ನವಾದೀತು. ಎಚ್ಚರಿಕೆಯಾಗಿರಿ. ೧೦ ಜ್ಞಾನಿಯಾದ ನೀನು ವಿಗ್ರಹಾಲಯದಲ್ಲಿ
ಊಟಕ್ಕೆ ಕೂತಿರುವಾಗ ನಿರ್ಬಲವಾದ ಮನಸ್ಸುಳ್ಳ ಸಹೋದರನು ಕಂಡರೆ ಅವನೂ ವಿಗ್ರಹಕ್ಕೆ
ನೈವೇದ್ಯ ಮಾಡಿದ ಪದಾರ್ಥಗಳನ್ನು ತಿನ್ನುವದಕ್ಕೆ ಧೈರ್ಯತಂದುಕೊಂಡಾನಲ್ಲವೇ ೧೧ ಹೀಗೆ ಆ
ಬಲಹೀನನು ನಿನ್ನ ಜ್ಞಾನದಿಂದ ನಾಶವಾಗುತ್ತಾನೆ. ಅವನು ಸಹೋದರನಲ್ಲವೇ. ಅವನಿಗಾಗಿಯೂ
ಕ್ರಿಸ್ತನು ತನ್ನ ಪ್ರಾಣ ಕೊಟ್ಟನಲ್ಲವೇ. ೧೨ ಹೀಗಿರಲಾಗಿ ಸಹೋದರರಿಗೆ ಪಾಪಮಾಡಿ ಅವರ
ನಿರ್ಬಲವಾದ ಮನಸ್ಸನ್ನು ನೋಯಿಸಿ ಕ್ರಿಸ್ತನಿಗೆ ಪಾಪಮಾಡುವವರಾಗುತ್ತೀರಿ. ೧೩ ಆದದರಿಂದ
ಭೋಜನ ಪದಾರ್ಥದಿಂದ ನನ್ನ ಸಹೋದರನಿಗೆ ವಿಘ್ನವಾಗುವದಾದರೆ ನಾಣು ಎಂದಿಗೂ
ಮಾಂಸವನ್ನು ತಿನ್ನುವದಿಲ್ಲ. ನಾನು ನನ್ನ ಸಹೋದರನಿಗೆ ವಿಘ್ನವನ್ನುಂಟುಮಾಡಬಾರದಲ್ಲಾ.

### ಸಭೆಯಲ್ಲಿ ಪೋಷಣೆಹೊಂದುವದಕ್ಕೆ ಬೋಧಕರಿಗೆ ಹಕ್ಕಿದ್ದರೂ ಪೌಲನು ಇತರರ ಹಿತಕ್ಕೋಸ್ಕರ ಆ ಹಕ್ಕನ್ನು ಬಳಸದೇ ಹೋದದರಲ್ಲಿ ಅವನ ನಡತೆಯೇ ಹಿಂದಿನ ಬೋಧನೆ ದೃಷ್ಟಾಂತ

೯ ೧ ನಾಣು ಸ್ವತಂತ್ರನಲ್ಲವೇ. ಅಪೊಸ್ತನಲ್ಲವೇನಮ್ಮ ಕರ್ತನಾದ ಯೇಸುವನ್ನು
ಕಂಡವನಲ್ಲವೇ. ನಾನು ಕರ್ತನ ಸೇವೆಯಲ್ಲಿ ಮಾಡಿದ ಕಲಸದ ಫಲವು ನೀವೇ ಅಲ್ಲವೇ.
೨ ಇತರರಿಗೆ ನಾನು ಅಪೊಸ್ತಲನಲ್ಲದಿದ್ದರೂ ನಿಮಗಾದರೂ ಅಪೊಸ್ತಲನಾಗಿದ್ದೇನೆ. ನಾಣು
ಅಪೊಸ್ತಲನಾಗಿದ್ದೇನೆಂಬದಕ್ಕೆ ಕರ್ತನಿಗೆ ಸೇರಿದವರಾದ ನೀವೇ ಪ್ರಮಾಣವಾಗಿದ್ದೀರಷ್ಟೇ.
೩ ನನ್ನನ್ನು ವಿಚಾರಿಸುವವರಿಗೆ ಇದೇ ನನ್ನ ಉತ್ತರ. ೪ ಅನ್ನ ಪಾನಗಳಿಗೆ ನಮಗೆ ಹಕ್ಕಿಲ್ಲವೇ
೫ ಕ್ರೈಸ್ತ ಸಹೋದರಿಯಾಗಿರುವ ಹೆಂಡತಿಯನ್ನು ಕರಕೊಂಡು ಸಂಚರಿಸುವದಕ್ಕೆ ಮಿಕ್ಕಾದ
ಅಪೊಸ್ತಲರಂತೆಯೂ ಕರ್ತನ ತಮ್ಮಂದಿರಂತೆಯೂ ಕೇಫನಂತೆಯೂ ನಮಗೆ ಹಕ್ಕಿಲ್ಲವೇ
೬ ಅಥವಾ ಕೈಕೆಲಸವನ್ನು ಮಾಡದೆ ಜೀವಿಸುವದಕ್ಕೆ ನನಗೂ ಬಾರ್ನಬನಿಗೂ ಮಾತ್ರ
ಹಕ್ಕಿಲ್ಲವೇನು? ೭ ಯಾವ ಸಿಪಾಯಿಯಾದರೂ ಸ್ವಂತ ಖರ್ಚಿನಿಂದ ಯುದ್ಧಕ್ಕೆ ಹೋಗುವದುಂಟೇ?
ದ್ರಾಕ್ಷೇತೋಟವನ್ನು ಮಾಡಿದವನು ಅದರ ಫಲವನ್ನು ತಿನ್ನದೇ ಇರುವದುಂಟೋ? ಪಶುಗಳನ್ನು
ಸಾಕಿದವನು ಅವುಗಳ ಹೈನಿನಿಂದ ಜೀವಿಸದೇ ಇರುವದುಂಟೋ? ೮ ನಾಣು ಹೇಳಿದ್ದು ಬರೀ
ಕೋಲವಾಡಿಕೆಯ ಮಾತೋ? ಧರ್ಮಶಾಸ್ತ್ರವು ಇದನ್ನು ಹೇಳುವದಿಲ್ಲವೋ? ೯ ಕಣತುಳಿಯುವ
ಎತ್ತಿನ ಬಾಯನ್ನು ಕಟ್ಟಬಾರದೆಂದು ಮೋಶೆಯ ಧರ್ಮಶಾಸ್ತ್ರದಲ್ಲಿ ಬರೆದದೆ. ದೇವರು
ಚಿಮತಿಸುವದು ಎತ್ತುಗಳಿಗಾಗಿಯೋ? ೧೦ ಅಥವಾನಮಗೋಸ್ಕರವಾಗಿಯೇ ಹೇಳುತ್ತಾನೋ?
ಹೌದು. ನಮಗೋಸ್ಕರ ಬರೆದದೆ. ಉಳುವವನು ಬೆಳೆಯಲ್ಲಿ ತನಗೆ ಪಾಲು ದೊರಕುತ್ತದೆಂದು
ಉಳುವದೂ ಒಕ್ಕುವವನು ತನಗೆ ಪಾಲು ದೊರಕುತ್ತದೆಂದು ಒಕ್ಕುವದು ನ್ಯಾಯ. ೧೧ ನಾವು
ನಿಮಗೋಸ್ಕರ ಆತ್ಮಸಂಬಂಧವಾದ ಬೀಜವನ್ನು ಬಿತ್ತಿದ ಮೇಲೆ ನಿಮ್ಮಿಂದ ಶರೀರಸಂಭಂದವಾದ
ಪೈರನ್ನು ಕೊಯ್ಯುವದು ದೊಡ್ಡದೋ? ೧೨ ಈ ಹಕ್ಕು ಇತರರಿಗೆ ನಿಮ್ಮ ಮೇಲೆ ಇದ್ದರೆ
ನಮಗೆ ಎಷ್ಟೋ ಹೆಚ್ಚಾಗಿ ಇರಬೇಕಲ್ಲಾ ಆದರೂ ನಾವು ಈ ಹಕ್ಕನ್ನು ನಡಿಸದೇ ಕ್ರಿಸ್ತನ
ಸುವಾರ್ತೆಗೆ ಅಡ್ಡಿಮಾಡಬಾರದೆಂದು ಎಲ್ಲವನ್ನು ಸಹಿಸಿಕೊಂಡೆವು. ೧೩ ದೇವಾಲಯದ
ಉಳಿಗವನ್ನು ನಡಿಸುವವರು ದೇವಾಲಯದ ಆದಾಯದಿಂದ ಊಟಮಾಡುತ್ತಾರೆಂಬದು
ಯಜ್ಞವೇದಿಯ ಬಳಿಯಲ್ಲಿ ಸೇವೆಮಾಡುವವರು ಆ ವೇದಿಗೆ ಬರುವ ಪದಾರ್ಥಗಳಲ್ಲಿ
ಪಾಲುಹೊಂದುತ್ತಾರೆಂಬದೂ ನಿಮಗೆ ತಿಳಿಯದೋ? ೧೪ ಅದೇ ರೀತಿಯಾಗಿ ಕರ್ತನೂ ಸಹ
ಸುವಾರ್ತೆಯನ್ನು ಸಾರುವವರು ಸುವಾರ್ತೆಯಿಂದಲೇ ಜೀವನಮಾಡಬೇಕೆಂದು ನೇಮಿಸಿದನು.
೧೫ ನಾನಂತೂ ಈ ಹಕ್ಕುಗಳಲ್ಲಿ ಒಂದನ್ನೂ ನಡಿಸಲಿಲ್ಲ. ನನ್ನ ವಿಷಯದಲ್ಲಿಯೂ
ಹೀಗಾಗಬಾರದೆಂದು ಈ ಸಂಗತಿಗಳನ್ನು ನಾನು ಬರೆಯಲಿಲ್ಲ. ಅದಕ್ಕಿಂತ ಸಾಯುವದೇ ನನಗೆ
ಲೇಸು. ಹೊಗಳಿಕೊಳ್ಳುವದಕ್ಕೆ ನನಗಿರುವ ಈ ಆಸ್ಪದವನ್ನು ಯಾರೂ ತೆಗೆದುಬಿಡಬಾರದು.
೧೬ ನಾನು ಸುವಾರ್ತೆಯನ್ನು ಸಾರಿದರೂ ಹೊಗಳಿಕೊಳ್ಳುವದಕ್ಕೆ ನನಗೇನೂ ಆಸ್ಪದವಿಲ್ಲ.
ಸಾರಲೇ ಬೇಕೆಂಬ ನಿರ್ಭಂದ ನನಗುಂಟು ಸಾರದಿದ್ದರೆ ನನ್ನ ಗತಿಯನ್ನು ಏನು ಹೇಳಲಿ ೧೭ ನಾನು
ಸ್ವಂತ ಇಷ್ಟದಿಂದ ಈ ಕೆಲಸವನ್ನು ಮಾಡಿದರೆ ಬಹುಮಾನ ದೊರೆಯುವದು. ಮತ್ತೊಬ್ಬನ
ಇಷ್ಟದಿಂದ ಮಾಡಿದರೆ ಮನೆವಾರ್ತೆಯು ನನ್ನ ವಶಕ್ಕೆ ಕೊಡಲ್ಪಟ್ಟಿದೆ. ೧೮ ಹಾಗಾದರೆ ನನಗಾಗುವ

ಬಹುಮಾನವೇನು? ಸುವಾರ್ತೆಯನ್ನು ಸಾರುವಾಗ ಅದರಿಂದ ಜೀವನ ಮಾಡುವ ಹಕ್ಕನ್ನು ನಡಿಸದೇ
ಅದನ್ನು ಉಚಿತಾರ್ಥವಾಗಿ ದಾನಮಾಡುವದೇ ನನಗೆ ಬಹುಮಾನ.
೧೯ ನಾನು ಎಲ್ಲಾ ವಿಷಯಗಳಲ್ಲಿ ಸ್ವತಂತ್ರನಾಗಿದ್ದರೂ ಹೆಚ್ಚು ಜನರನ್ನು
ಸಂಪಾದಿಸಿಕೊಳ್ಳಬೇಕೆಂದು ನನ್ನನ್ನು ಎಲ್ಲರಿಗೂ ಅಧೀನಮಾಡಿದೆನು. ೨೦ ಯೆಹೂದ್ಯರನ್ನು
ಸಂಪಾದಿಸಿಕೊಳ್ಳುವದಕ್ಕೆ ಯೆಹೂದ್ಯರಿಗೆ ಯೆಹೂದ್ಯನಂತಾದೆನು.ನಾಣು ನಿಯಮಗಳಿಗೆ
ಅಧಿನನಲ್ಲದವನಾದರೂ ನಿಯಮಗಳಿಗೆ ಅಧೀನರಾದವರನ್ನು ಸಂಪಾದಿಸಿಕೊಳ್ಳುವದಕ್ಕಗಿ
ಅವರಿಗೆ ನಿಯಮಗಳಿಗೆ ಅಧೀನನಂತಾದೆನು ೨೧ ನಾನು ದೇವರ ನೇಮವಿಲ್ಲದವನಲ್ಲ. ಕ್ರಿಸ್ತನ
ನಿಯಮಕ್ಕೊಳಗಾದವನೇ. ಆದರೂ ನಿಯಮವಿಲ್ಲದವರನ್ನು ಸಂಪಾದಿಸಿಕೊಳ್ಳುವದಕ್ಕಾಗಿ
ಅವರಿಗೆ ನಿಯಮವಿಲ್ಲದವನಾದೆನು. ೨೨ ಬಲವಿಲ್ಲದವರನ್ನು ಸಂಪಾದಿಸುವದಕ್ಕೆ ಅವರಿಗೆ
ಬಲವಿಲ್ಲದವನಾದೆನು. ಯಾವ ವಿಧದಲ್ಲಿಯಾದರೂ ಕೆಲವರನ್ನು ರಕ್ಷಿಸಿಕೊಳ್ಳಬೇಕೆಂದು
ಯಾರರಿಗೆ ಎಂಥಂಥವನಾಗಬೇಕೋ ಅಂಥಂಥವನಾಗಿದ್ದೇನೆ. ೨೩ ನಾನು ಇತರರ ಸಂಗಡ
ಸುವಾರ್ತೆಯ ಫಲದಲ್ಲಿ ಪಾಲುಗಾರನಾಗಬೇಕೆಂದು ಇದೆಲ್ಲವನ್ನು ಸುವಾರ್ತೆಗೋಸ್ಕರವೇ
ಮಾಡುತ್ತೇನೆ.
೨೪ ರಂಗಸ್ಥಾನದಲ್ಲಿ ಓಡುವದಕ್ಕೆ ಗೊತ್ತಾದವರೆಲ್ಲರೂ ಓಡುತ್ತಾರಾದರೂ ಒಬ್ಬನು ಮಾತ್ರ
ಬಿರುದನ್ನು ಹೊಂದುತ್ತಾನೆ ಎಂಬುದು ನಿಮಗೆ ತಿಳಿಯದೋ? ಅವರಂತೆ ನೀವೂ ಬಿರುದನ್ನು
ಪಡಕೊಳ್ಳಬೇಕೆಂತಲೇ ಓಡಿರಿ. ೨೫ ಅದರಲ್ಲಿ ಹೋರಾಡುವವರೆಲ್ಲರು ಎಲ್ಲಾ ವಿಷಯಗಳಲ್ಲಿ
ಮಿತವಾಗಿರುತ್ತಾರೆ. ಅವರು ಬಾಡಿ ಹೋಗುವ ಜಯಮಾಲಿಕೆಯನ್ನು ಹೊಂದುವದಕ್ಕೆ ಸಾಧನೆ
ಮಾಡುತ್ತಾರೆ. ನಾವಾದರೋ ಬಾಡಿಹೋಗದ ಜಯಮಾಲಿಕೆಯನ್ನು ಹೊಂದುವದಕ್ಕೆ ಸಾಧನೆ
ಮಾಡುವವರಾಗಿದ್ದೇವೆ. ೨೬ ಹೀಗಿರಲಾಗಿ ನಾನೂ ಸಹ ಗುರಿಗೊತ್ತಿಲ್ಲದವನಾಗಿ ಓಡದೆ
ಗೆಲ್ಲಬೇಕೆಂದಿರುವ ಅವರಂತೆಯೇ ಓಡುತ್ತೇನೆ. ನಾಣು ಗಾಳಿಯನ್ನು ಗುದ್ದುವವನಾಗಿರದೆ
ಗೆಲ್ಲಬೇಕೆಂದವನಾಗಿ ಗುದ್ದಾಡುತ್ತೇನೆ. ೨೭ ಇತರರನ್ನು ಹೋರಾಟಕ್ಕೆ ಕರೆದ ಮೇಲೆ
ನಾನೇ ಅಯೋಗ್ಯನೆನಿಸಿಕೊಂಡೇನೋ ಎಂಬ ಭಯದಿಂದ ನನ್ನ ಮೈಯನ್ನು ಜಜ್ಜಿ
ಸ್ವಾಧೀನಪಡಿಸಿಕೊಳ್ಳುತ್ತೇನೆ.

### ಕ್ರೈಸ್ತರ ಎಚ್ಚರಿಕೆಗಾಗಿ ಪೌಲನು ಇಸ್ರಾಯೇಲ್ಯರ ದೃಷ್ಟಾಂತವನ್ನು ಸೂಚಿಸಿದ್ದು.

೧೦ ೧ ಸಹೋದರರೇ, ಮುಂದಿನ ಸಂಗತಿಯಲ್ಲಿ ನೀವು ಲಕ್ಷವಿಡಬೇಕೆಂದು ನಾನು
ಅಪೇಕ್ಷೀಸುತ್ತೇನೆ. ಅದೇನಂದರೆ ನಮ್ಮ ಪಿತೃಗಳೆಲ್ಲರೂ ಸಮುದ್ರದಲ್ಲಿ
ದಾಟಿ ಹೋದರು. ೨ ಅವರೆಲ್ಲರೂ ಮೋಶೆಯ ಶಿಷ್ಯರಾಗುವದಕ್ಕಾಗಿ ಮೇಘದಲ್ಲಿಯೂ
ಸಮುದ್ರದಲ್ಲಿಯೂ ದೀಕ್ಷಾಸ್ನಾನವನ್ನು ಹೊಂದಿದರು. ೩ ಅವರೆಲ್ಲರೂ ದೈಹೀಕವಾದ ಒಂದೇ
ಆಹಾರವನ್ನು ತಿಂದರು. ೪ ಅವರೆಲ್ಲರೂ ದೈವೀಕವಾದ ಒಂದೇ ನೀರನ್ನು ಕುಡಿದರು.
ಹೇಗೆಂದರೆ ಅವರ ಹಿಂದೆ ಹೋಗುತ್ತಿದ್ದ ದೈವಿಕವಾದ ಬಂಡೆಯೊಳಗಿಂದ ಬಂದ ನೀರನ್ನು
ಕುಡಿಯುತ್ತಿದ್ದರು. ಆ ಬಂಡೆ ಕ್ರಿಸ್ತನೇ. ೫ ಆದರೂ ಅವರೊಳಗೆ ಬಹು ಮಂದಿಯ ವಿಷಯದಲ್ಲಿ
ದೇವರು ಸಂತೋಷಿಸಲಿಲ್ಲ. ಅವರು ಅಡವಿಯಲ್ಲಿ ಸಂಹರಿಸಲ್ಪಟ್ಟರೆಂದು ಬರೆದಿದೆಯಷ್ಟೆ.
೬ ಅವರು ಕೆಟ್ಟ ವಿಷಯಗಳನ್ನು ಆಶಿಸಿದಂತೆ ನಾವು ಆಶಿಸುವವರಾಗಬಾರದೆಂಬದಕ್ಕಾಗಿ ಈ
ಸಂಗತಿಗಳು ನಮಗೆ ನಿದರ್ಶನಗಳಾಗಿವೆ. ೭ ಅವರಲ್ಲಿ ಕೆಲವರು ವಿಗ್ರಹಾರಾಧಕರಾಗಿದ್ದರು.
ಜನರು ಉಣ್ಣುವದಕ್ಕೂ ಕುಡಿಯುವದಕ್ಕೂ ಕೂತುಕೊಂಡರು. ಕುಣದಾಡುವದಕ್ಕೆ ಎದ್ದರು ಎಂದು
ಬರೆದದೆಯಲ್ಲಾ. ನೀವು ವಿಗ್ರಹಾರಾಧಕರಾಗಬೇಡಿರಿ. ೮ ಅವರಲ್ಲಿ ಕೆಲವರು ಜಾರತ್ವ ಮಾಡಿ
ಒಂದೇ ದಿನದಲ್ಲಿ ಇಪ್ಪತ್ತು ಮೂರು ಸಾವಿರ ಮಂದಿ ಸತ್ತರು. ನಾವು ಜಾರತ್ವ ಮಾಡದೆ ಇರಣೋಣ.
೯ ಅವರಲ್ಲಿ ಕೆಲವರು ಕರ್ತನನ್ನು ಪರೀಕ್ಷೀಸಿ ಸರ್ಪಗಳಿಂದ ನಾಶವಾದರು. ನಾವು ಪರೀಕ್ಷಿಸದೇ
ಇರಣೋಣ. ೧೦ ಇದಲ್ಲದೆ ಅವರಲ್ಲಿ ಕೆಲವರು ಗುಣಗುಟ್ಟಿ ಸಂಹಾರಕನ ಕೈಯಿಂದ ವಾಶವಾದರು.
ನೀವು ಗುಂಗುಟ್ಟಬೇಡಿರಿ. ೧೧ ಅವರಿಗೆ ಸಂಭವಿಸಿದ ಈ ಸಂಗತಿಗಳು ನಿದರ್ಶನರೂಪವಾಗಿವೆ.
ಮತ್ತು ಯುಗಾಂತ್ಯಕ್ಕೆ ಬಂದಿರುವವರಾದ ನಮಗೆ ಬುದ್ಧಿವಾದಗಳಾಗಿ ಬರೆದವೆ. ೧೨ ಆದಕಾರಣ
ನಿಂತಿದ್ದೇನೆಂದು ನೆನಸುವವನು ಬೀಳದಂತೆ ಎಚ್ಚರಿಕೆಯಾಗಿರಲಿ. ೧೩ ಮನುಷ್ಯರು
ಸಹಿಸಬಹುದಾದ ಶೋಧನೆಯೇ ಹೊರತು ಬೇರೆ ಯಾವದೂ ನಿಮಗೆ ಸಂಭವಿಸಲಿಲ್ಲ. ದೇವರು
ನಂಬಿಗಸ್ತನು. ನಿಮ್ಮ ಶಕ್ತಿಯನ್ನು ಮೀರುವ ಶೋಧನೆಯನ್ನು ನಿಮಗೆ ಬರಗೊಡಿಸದೆ ನೀವು

ಅದನ್ನು ಸಹಿಸುವದಕ್ಕೆ ಶಕ್ತರಾಗುವಂತೆ ಶೋಧನೆಯಾಗುತ್ತಲೇ ತಪ್ಪಿಸಿಕೊಳ್ಳುವ ಮಾರ್ಗವನ್ನು
ಸಿದ್ಧಮಾಡುವನು.

ಕ್ರಿಸ್ತಸೇವೆಗೂ ವಿಗ್ರಹಾರಾಧನೆಗೂ ಸಂಗರ್ವೇನೂ ಇರಕೂಡದೆಂಬುವ ಬೋಧೆ.

೧೪ ಆದದರಿಂದ ಪ್ರಿಯ ಸಹೋದರರೇ, ವಿಗ್ರಹಾರಾಧನೆಯ ಗೊಡವೆಯನ್ನು
ಸಂಪೂರ್ಣವಾಗಿ ತೊರೆದು ಬಿಡಿರಿ. ೧೫ ನೀವು ವಿವೇಕಿಗಳೆಂದು ಇದನ್ನು ಹೇಳುತ್ತೇನೆ.
ನಾನು ಹೇಳುವದನ್ನು ನೀವೇ ಯೋಚಿಸಿರಿ. ೧೬ ನಾವು ದೇವರ ಸ್ತೋತ್ರಮಾಡಿ ಪಾತ್ರೆಯಲ್ಲಿ
ಪಾನ ಮಾಡುವದು ಕ್ರಿಸ್ತನ ರಕ್ತದಲ್ಲಿ ಪಾಲುಗಾರರಾಗಿದ್ದೇವೆಂಬದನ್ನು ಸೂಚಿಸುತ್ತಲ್ಲವೇನಾವು
ರೊಟ್ಟಿಯನ್ನು ಮುರಿದು ತಿನ್ನುವದು ಕ್ರಿಸ್ತನ ದೇಹದಲ್ಲಿ ಪಾಲುಗಾರಗಾಗಿದ್ದೇವೆಂಬದನ್ನು
ಸೂಚಿಸುತ್ತದಲ್ಲವೇ. ೧೭ ರೊಟ್ಟಯು ಒಂದೇ ಆಗಿರುವದರಿಂದ ಅನೇಕರಾಗಿರುವ ನಾವು
ಒಂದೇ ದೇಹದಂತಿದ್ದೇವೆ.ಯಾಕಂದರೆ ನಾವೆಲ್ಲರೂ ಆ ಒಂದೇ ರೊಟ್ಟಿಯಲ್ಲಿ ಪಾಲು
ತಕ್ಕೊಂಡು ತಿನ್ನುತ್ತೇವೆ. ೧೮ ವಂಶಕ್ರಮದಿಂದ ಇಸ್ರಾಯೇಲ್ಯರಾಗಿರುವವರನ್ನು ಯೋಚಿಸಿರಿ.
ಯಜ್ಞಮಾಡಿದ್ದನ್ನು ತಿನ್ನುವವರು ಯಜ್ಞವೇದಿಯೊಡನೆ ಭಾಗಿಗಳಾಗಿದ್ದಾರಲ್ಲವೇ. ೧೯ ಹೀಗೆ
ಹೇಳುವದರಿಂದ ಏನು ಹೇಳಿದ ಹಾಗಾಯಿತು.? ವಿಗ್ರಹಕ್ಕೆ ನೈವೇದ್ಯ ಮಾಡಿದ ಪದಾರ್ಥವು
ವಾಸ್ತವವೆಂದು ಅಥವಾ ವಿಗ್ರಹವು ವಾಸ್ತವವೆಂದು ನನ್ನ ಅಭಿಪ್ರಾಯವೋ? ಅಲ್ಲ. ೨೦ ಆದರೆ
ಅನ್ಯಜನರು ತವು ಅರ್ಪಿಸುವ ಬಲಿಗಳನ್ನು ದೇವರಿಗಲ್ಲ. ದೆವ್ವಗಳಿಗೆ ಅರ್ಪಿಸುತ್ತಾರೆಂದು
ನನ್ನ ಅಭಿಪ್ರಾಯವು. ನೀವು ದೆವ್ವಗಳೊಡನೆ ಭಾಗಿಗಳಾಗಿರಬೇಕೆಂಬದು ನನ್ನ ಇಷ್ಟವಲ್ಲ.
೨೧ ನೀವು ಕರ್ತನ ಪಾತ್ರೆ ದೆವ್ವಗಳ ಪಾತ್ರೆಇವುಗಳೊಳಗೆ ಒಂದರಲ್ಲಿಯೇ ಹೊರತು
ಎರಡರಲ್ಲಿಯೂ ಕುಡಿಯಲಾರಿರಿ.ಕರ್ತನ ಪಂಕ್ತಿ ದೆವ್ವಗಳ ಪಂಕ್ತಿ ಇವುಗಳೊಳಗೆ ಒಂದರಲ್ಲಿಯೇ
ಹೊರತು ಎರಡರಲ್ಲಿಯೂ ಊಟಮಾಡಲಾರಿರಿ ೨೨ ಕರ್ತನನ್ನು ರೇಗಿಸಬೇಕೆಂದಿದ್ದೇವೋ?
ಆತನಿಗಿಂತಲೂ ನಾವು ಬಲಿಷ್ಟರೇನು?

ವಿಗ್ರಹಕ್ಕೆ ಅರ್ಪಿತವಾದದ್ದನ್ನು ಉಣ್ಣಬಹುದೋ ಬಾರದೋ ಎಂಬುವ
ವಿಚಾರದಲ್ಲಿ ಪರರ ಹಿತವನ್ನು ಲಕ್ಷಿಸುವದೇ ಮುಖ್ಯವಾದದ್ದು.

೨೩ ಎಲ್ಲಾ ಕಾರ್ಯಗಳನ್ನು ಮಾಡುವದಕ್ಕೆ ಸ್ವಾತಂತ್ರ್ಯವುಂಟು. ಆದರೆ ಎಲ್ಲವೂ
ವಿಹಿತವಾಗಿರುವದಿಲ್ಲ. ಎಲ್ಲಾ ಕಾರ್ಯಗಳನ್ನು ಮಾಡುವದಕ್ಕೆ ಸ್ವಾತಂತ್ರ್ಯವುಂಟು ಆದರೆ ಎಲ್ಲವೂ
ಭಕ್ತಿಯನ್ನು ಬೆಳಿಸುವದಿಲ್ಲ. ೨೪ ಪ್ರತಿಯೊಬ್ಬನು ತನ್ನ ಹಿತವನ್ನು ಚಿಂತಿಸದೇ ಪರಹಿತವನ್ನು
ಚಿಂತಿಸಲಿ. ೨೫ ಕಟುಕರ ಅಂಗಡಿಯಲ್ಲಿ ಮಾರುವಂಥದ್ದು ಏನಿದ್ದರೂ ಅದನ್ನು ಮನಸ್ಸಿನಲ್ಲಿ
ಸಂಶಯ ಹುಟ್ಟಿಸುವ ವಿಚಾರ ಮಾಡದೇ ತಿನ್ನಿರಿ. ೨೬ ಭೂಮಿಯು ಅದರಲ್ಲಿರುವ ಸಮಸ್ತವೂ
ಕರ್ತನದಾಗಿದೆಯಲ್ಲವೇ. ೨೭ ಕ್ರಿಸ್ತನನ್ನು ನಂಬದವರಲ್ಲಿ ಒಬ್ಬನು ನಿಮ್ಮನ್ನು ಊಟಕ್ಕೆ ಕರೆಯುವಾಗ
ಹೋಗುವದಕ್ಕೆ ನಿಮಗಿಷ್ಟವಿದ್ದರೆ ನಿಮಗೇನು ಬಡಿಸಿದರೂ ಅದನ್ನು ಮನಸ್ಸಿನಲ್ಲಿ ಸಂಶಯ
ಹುಟ್ಟಿಸುವ ವಿಚಾರಣೆ ಮಾಡದೇ ತಿನ್ನಿರಿ. ೨೮ ಆದರೆ ಒಬ್ಬನು ನಿಮಗೆ ಇದು ವಿಗ್ರಹಾಲಯದಲ್ಲಿ
ಬಲಿಕೊಟ್ಟದ್ದು ಎಂದು ಹೇಳಿದರೆ ಈ ಸಂಗತಿಯನ್ನು ತಿಳಿಸಿದವನ ನಿಮಿತ್ತವಾಗಿಯೂ
ಮನಸ್ಸಿನಲ್ಲಿ ಸಂಶಯಕ್ಕೆ ಸ್ಥಳಕೊಡಬಾರದೆಂಬ ಕಾರಣದಿಂದಲೂ ತಿನ್ನಬೇಡಿರಿ. ೨೯ ಅದು
ನಿನ್ನ ಮನಸ್ಸಿನ ಸಂಶಯವಲ್ಲ. ತಿಳಿಸಿದವನ ಮನಸ್ಸಿನಲ್ಲಿರುವ ಸಂಶಯವೇ.ಮತ್ತೊಬ್ಬನ
ಮನಸ್ಸಿನಲ್ಲರುವ ಸಂಶಯದಿಂದ ನನ್ನ ಸ್ವಾತಂತ್ರಕ್ಕೆ ಯಾಕೆ ತೀರ್ಪಾಗಬೇಕು. ? ೩೦ ನಾನು
ಕೃತಜ್ಞತೆಯೊಡನೆ ಊಟಮಾಡಿ ದೇವರನ್ನು ಸ್ತುತಿಸಿದ ಮೇಲೆ ಆ ಪದಾರ್ಥಗಳ ನಿಮಿತ್ತ
ನನಗೆ ಯಾಕೆ ದೂಷಣೆಯಾಗಬೇಕು.? ೩೧ ಹೀಗಿರಲಾಗಿ ನೀವು ಉಂಡರೂ ಕುಡಿದರೂ
ಇನ್ನೇನು ಮಾಡಿದರೂ ಎಲ್ಲವನ್ನೂ ದೇವರ ಘನತೆಗಾಗಿ ಮಾಡಿರಿ. ೩೨ ಯೆಹೂದ್ಯರಿಗಾಗಲಿ
ಗ್ರೀಕರಿಗಾಗಲಿ ದೇವರ ಸಭೆಗಾಗಲಿ ವಿಘ್ನವಾಗಬೇಡಿರಿ. ೩೩ ನಾನಂತೂ ಸ್ವಪ್ರಯೋಜನಕ್ಕಾಗಿ
ಚಿಂತಿಸದೇ ಮನುಷ್ಯರೆಲ್ಲರು ರಕ್ಷಣೆಹೊಂದಬೇಕೆಂದು ಅವರ ಪ್ರಯೋಜನಕ್ಕಾಗಿ ಚಿಂತಿಸಿ
ಎಲ್ಲರನ್ನು ಎಲ್ಲಾ ವಿಷಯಗಳಲ್ಲಿ ಮೆಚ್ಚಿಸುವವನಾಗಿದ್ದೇನೆ.

# ೧೧

೧ ನಾನು ಕ್ರಿಸ್ತನನ್ನು ಅನಿಸರಿಸುವಂತೆಯೇ ನೀವು ನನ್ನನ್ನು ಅನುಸರಿಸುವವರಾಗಿರಿ.

## ಸ್ತ್ರೀಯರು ಮುಸುಕಿಲ್ಲದೆ ಸಭೆಯಲ್ಲಿ ದೇವಾರಾಧನೆ ಮಾಡುವದು ಯುಕ್ತವಲ್ಲ.

೨ ನೀವು ಎಲ್ಲಾದರಲ್ಲಿಯೂ ನನ್ನನ್ನು ಜ್ಞಾಪಕಮಾಡಿಕೊಂಡು ನಾನು ನಿಮಗೆ
ತಿಳಿಸಿಕೊಟ್ಟ ಕಟ್ಟಳೆಗಳನ್ನು ಅನುಸರಿಸಿ ನಡೆಯುತ್ತಿರೆಂದು ನಿಮ್ಮನ್ನು ಹೊಗಳಿಕೊಳ್ಳುತ್ತೇನೆ.
೩ ಆದರೂ ಒಂದು ಸಂಗತಿಯನ್ನು ತಿಳಿಯಬೇಕೆಂದು ನನ್ನ ಇಷ್ಟ. ಅದೇನಂದರೆ ಪ್ರತಿ ಪುರುಷನಿಗೂ
ಕ್ರಿಸ್ತನು ತಲೆ. ಸ್ತ್ರೀಗೆ ಪುರುಷನು ತಲೆ. ಕ್ರಿಸ್ತನಿಗೆ ದೇವರು ತಲೆ ಆಗಿದ್ದಾನೆ. ೪ ತಲೆಯನ್ನು
ಮುಚ್ಚಿಕೊಂಡು ಪ್ರಾರ್ಥನೆಯನ್ನಾಗಲಿ ಪ್ರವಾಧನೆಯನ್ನಾಗಲಿ ಮಾಡುವ ಪುರುಷನು ತನ್ನ ತಲೆಯನ್ನು
ಅವಮಾನಪಡಿಸುತ್ತಾನೆ. ೫ ತಲೆಯ ಮೇಲೆ ಮುಸುಕು ಹಾಕಿಕೊಳ್ಳದೆ ಪ್ರಾರ್ಥನೆಯನ್ನಾಗಲಿ
ಪ್ರವಾದನೆಯನ್ನಾಗಲಿ ಮಾಡುವ ಸ್ತ್ರೀಯು ತನ್ನ ತಲೆಯನ್ನು ಅವಮಾನಪಡಿಸುತ್ತಾಳೆ.
ಸ್ತ್ರೀಯು ಮುಸುಕಿಲ್ಲದಿರುವದೂ ತಲೆಬೋಳಿಸಿಕೊಂಡಿರುವದೂ ಒಂದೇ. ೬ ಸ್ತ್ರೀಯು
ಮುಸುಕು ಹಾಕಿಕೊಳ್ಳದಿದ್ದರೆ ಆಕೆಯು ಕೂದಲನ್ನು ತೆಗೆಸಿಬಿಡಬೇಕಷ್ಟೆ.ಆದರೆ ಕೂದಲನ್ನು
ಕತ್ತರಿಸಿಕೊಳ್ಳುವದಾಗೆ ತಲೆಬೋಳಿಸಿಕೊಳ್ಳುವದಾಗಲಿ ಸ್ತ್ರೀಗೆ ಅವಮಾನಕರವಾಗಿದ್ದರೆ
ಆಕೆಯು ಮುಸುಕನ್ನು ಹಾಕಿಕೊಳ್ಳಲಿ. ೭ ಪುರುಷನು ದೇವರ ಪ್ರತಿರೂಪವೂ ಪ್ರಭಾವವೂ
ಆಗಿರುವದರಿಂದ ತಲೆಯನ್ನು ಮುಚ್ಚಿಕೊಳ್ಳಕೂಡದು. ಸ್ತ್ರೀಯಾದರೂ ಪುರುಷನ
ಪ್ರಭಾವವಾಗಿದ್ದಾಳೆ. ೮ ಪುರುಷನು ಸ್ತ್ರೀಯಿಂದ ಉತ್ಪತ್ತಿಯಾಗಲಿಲ್ಲ. ಸ್ತ್ರೀಯು ಪುರುಷನಿಂದ
ಉತ್ಪತ್ತಿಯಾದಳು. ೯ ಇದಲ್ಲದೆ ಪುರುಷನು ಸ್ತ್ರೀ ನಿಮಿತ್ತವಾಗಿ ನಿರ್ಮಾಣವಾಗಲಿಲ್ಲ.ಸ್ತ್ರೀಯು
ಪುರುಷನ ನಿಮಿತ್ತವಾಗಿ ನಿರ್ಮಾಣವಾದಳು. ೧೦ ಹೀಗಿರುವದರಿಂದ ದೂತರ ನಿಮಿತ್ತವಾಗಿ
ಸ್ತ್ರೀಯು ಪುರುಷನ ಅಧಿಕಾರ ಸೂಚಿಸುವ ಮುಸುಕನ್ನು ತಲೆಯ ಮೇಲೆ ಹಾಕಿಕೊಂಡಿರಬೇಕು.
೧೧ ಆದರೂ ಕರ್ತನ ಸಂಬಂದದಲ್ಲಿ ಪುರುಷರಿಲ್ಲದೆ ಸ್ತ್ರೀಯರೂ , ಸ್ತ್ರೀಯರಿಲ್ಲದೆ ಪುರುಷರೂ
ಸಂಪೂರ್ಣರಲ್ಲ. ೧೨ ಸ್ತ್ರೀಯು ಪುರುಷನಿಂದ ಉತ್ಪತ್ತಿಯಾದಳು. ಹಾಗೆಯೇ ಪುರುಷನು
ಸ್ತ್ರೀಮೂಲಕವಾಗಿ ಹುಟ್ಟುತ್ತಾನೆ. ಸಮಸ್ತಕ್ಕೂ ದೇವರೇ ಮೂಲಕಾರಣನು. ೧೩ ನಿಮ್ಮೊಳಗೆ
ನೀವೇ ಯೋಚಿಸಿ ತೀರ್ಮಾನಿಸಿಕೊಳ್ಳಿರಿ. ಸ್ತ್ರೀಯು ಮುಸುಕು ಹಾಕಿಕೊಳ್ಳದೆ ದೇವರಿಗೆ
ಪ್ರಾರ್ಥನೆ ಮಾಡುವದು ಯುಕ್ತವೋ ೧೪ ಪುರುಷನು ಕೂದಲು ಬೆಳೆಸಿಕೊಂಡರೆ ಅದು
ಅವನಿಗೆ ಅವಮಾನಕರವಾಗಿದೆಯೆಂದೂ ೧೫ ಸ್ತ್ರೀಯು ಬೆಳೆಸಿಕೊಂಡರೆ ಕೂದಲು
ಅವಳಿಗೆ ಗೌರವವಾಗಿದೆಯೆಂದೂ ನಿಮಗೆ ಸ್ವಭಾವಸಿದ್ಧವಾಗಿ ತಿಳಿಯುತ್ತದಲ್ಲವೋ?
೧೬ ಒಬ್ಬನು ವಾಗ್ವಾದಪ್ರಿಯವಾಗಿ ಕಾಣಿಸಿಕೊಂಡರೆ ಇಂಥ ಪದ್ದತಿ ನಮ್ಮಲಿಲ್ಲ. ಮತ್ತು ದೇವರ
ಸಭೆಗಳಲ್ಲಿಯೂ ಇಲ್ಲ. ಎಂದು ತಿಳುಕೊಳ್ಳಿರಿ.

## ಕರ್ತನ ಭೋಜನವನ್ನು ಕ್ರಮತಪ್ಪಿ ಆಚರಿಸಿದ್ದನ್ನು ಕುರಿತದ್ದು.

೧೭ ನಾನು ಹೀಗೆ ನಿಮಗೆ ಅಪ್ಪಣೆಕೊಡುವಲ್ಲಿ ನಿಮ್ಮನ್ನು ಹೊಗಳುವದಿಲ್ಲ. ಯಾಕಂದರೆ
ನೀವು ಕೂಡಿಬರುವದರಿಂದ ಕೇಡಾಗುತ್ತದೆಯೇ ಹೊತು ಮೇಲಾಗುವದಿಲ್ಲ. ೧೮ ಹೇಗೆಂದರೆ
ಮೊದಲನೇಯದು ನೀವು ಸಭೆಯಾಗಿ ಕೂಡಿಬರುವಾಗ ನಿಮ್ಮಲ್ಲಿ ಭೇಧಗಳು
ಉಂಟಾಗುತ್ತವೆಂದು ಕೇಳುತ್ತೇವೆ. ಮತ್ತು ಇದು ನಿಜವೆಂದು ಸ್ವಲ್ಪ ಮಟ್ಟಿಗೆ ನಂಬುತ್ತೇನೆ.
೧೯ ನಿಮ್ಮಲ್ಲಿ ಇಂಥಿಂಥವರು ಯೋಗ್ಯರೆಂದು ಕಾಣಬರುವಂತೆ ಭಿನ್ನಾಭಿಪ್ರಾಯಗಳು ಇರುವದು
ಅವಶ್ಯವೇ. ೨೦ ಪರಂತು ನೀವೆಲ್ಲರು ಕೂಡಿಬರುವಾಗ ನೀವು ಮಾಡುವ ಬೋಜನವು ಕರ್ತನ
ಭೋಜನವಲ್ಲ. ೨೧ ಭೋಜನವಾಗುವಲ್ಲಿ ಪ್ರತಿಯೊಬ್ಬನು ತಾನು ತಂದದ್ದನ್ನು ಮತ್ತೊಬ್ಬರಿಗಿಂತ
ಮುಂದಾಗಿ ಊಟಮಾಡುತ್ತಾನೆ. ಹೀಗೆ ಒಬ್ಬನು ಹಸಿದಿರುತ್ತಾನೆ ಮತ್ತೊಬ್ಬನು ಕುಡಿದು
ಮತ್ತನಾಗಿರುತ್ತಾನೆ. ೨೨ ಏನು ಉಣ್ಣುವದಕ್ಕೂ ಕುಡಿಯುವದಕ್ಕೂ ಮನೆಗಳಿಲ್ಲದೆ ಇದ್ದೀರಾ?
ಅಥವಾ ದೇವರ ಸಭೆಯನ್ನು ಅಸಡ್ಡೆಮಾಡಿ ಏನೂ ಇಲ್ಲದವರನ್ನು ನಾಚಿಕೆಪಡಿಸುತ್ತೀರಾ? ನಾನು
ನಿಮಗೇನು ಹೇಳಲಿ? ನಿಮ್ಮನ್ನು ಹೊಗಳಲೋ? ಈ ವಿಷಯದಲ್ಲಿ ಹೊಗಳುವದಿಲ್ಲ.
೨೩ ನಾನು ನಿಮಗೆ ತಿಳಿಸಿಕೊಟ್ಟ ಉಪದೇಶವನ್ನು ಕರ್ತನಿಂದ ಹೊಂದಿದೆನು.ಅದೇನಂದರೆ
–ಕರ್ತನಾದ ಯೇಸು ತಾನು ಹಿಡಿದು ಕೊಡಲ್ಪಟ್ಟ ರಾತ್ರಿಯಲ್ಲಿ ರೊಟ್ಟಿಯನ್ನು ತೆಗೆದುಕೊಂಡು
ದೇವರ ಸ್ತೋತ್ರ ಮಾಡಿ ಮುರಿದು, ೨೪ ಇದು ನಿಮಗೋಸ್ಕರವಾಗಿರುವ ನನ್ನ ದೇಹ, ನನ್ನನ್ನು
ನೆನಸಿಕೊಳ್ಳುವದಕ್ಕೋಸ್ಕರ ಹೀಗೆ ಮಾಡಿರಿ ಅಂದನು. ೨೫ ಊಟವಾದ ಮೇಲೆ ಆತನು ಅದೇ
ರೀತಿಯಾಗಿ ಪಾತ್ರೆಯನ್ನು ತೆಗೆದುಕೊಂಡು ಈ ಪಾತ್ರೆಯು ನನ್ನ ರಕ್ತದಿಂದ ಸ್ಥಾಪಿತವಾಗುವ

ಹೊಸ ಒಡಂಬಡಿಕೆಯನ್ನು ಸೂಚಿಸುತ್ತದೆ. ನೀವು ಇದರಲ್ಲಿ ಪಾನಮಾಡುವಾಗೆಲ್ಲಾ ನನ್ನನ್ನು
ನೆನಸಿಕೊಳ್ಳುವದಕ್ಕೋಸ್ಕರ ಪಾನಮಾಡಿರಿ ಅಂದನು. ೨೬ ನೀವು ಈ ರೊಟ್ಟಿಯನ್ನು
ತಿಂದು ಈ ಪಾತ್ರೆಯಲ್ಲಿ ಪಾನಮಾಡುವಷ್ಟು ಸಾರಿ ಕರ್ತನ ಮರಣವನ್ನು ಆತನು ಬರುವ
ತನಕ ಪ್ರಸಿದ್ಧಿಪಡಿಸುತ್ತೀರಿ. ೨೭ ಹೀಗಿರುವದರಂದ ಯಾವನಾದರೂ ಅಯೋಗ್ಯವಾಗಿ
ಕರ್ತನ ರೊಟ್ಟಿಯನ್ನು ತಿಂದರೆ ಇಲ್ಲವೆ ಆತನ ಪಾತ್ರೆಯಲ್ಲಿ ಪಾನ ಮಾಡಿದರೆ ಅವನು
ಕರ್ತನ ದೇಹಕ್ಕೂ ರಕ್ತಕ್ಕೂ ದ್ರೋಹಮಾಡಿದವನಾಗಿರುವನು. ೨೮ ಪ್ರತಿ ಮನುಷ್ಯನು ತನ್ನನ್ನು
ಪರೀಕ್ಷಿಸಿಕೊಂಡವನಾಗಿ ಆ ರೊಟ್ಟಿಯಲ್ಲಿ ತಕ್ಕೊಂಡು ತಿನ್ನಲಿ.ಆ ಪಾತ್ರೆಯಲ್ಲಿ ಕುಡಿಯಲಿ.
೨೯ ಯಾಕಂದರೆ ಕರ್ತನ ದೇಹವೆಂದು ವಿವೇಚಿಸದೇ ತಿಂದು ಕುಡಿಯುವವನು ಹಾಗೆ ತಿಂದು
ಕುಡಿಯುವದರಿಂದ ನ್ಯಾಯತೀರ್ಪಿಗೊಳಗಾಗುವನು. ೩೦ ಈ ಕಾರಣದಿಂದಲೆ ನಿಮ್ಮಲ್ಲಿ ಬಹು
ಮಂದಿ ಬಲಹೀನರು ರೋಗಿಗಳು ಆಗಿದ್ದಾರೆಮತ್ತು ಅನೇಕರು ಸಾಯುತ್ತಾರೆ. ೩೧ ನಮ್ಮನ್ನು
ನಾವೇ ವಿಚಾರಿಸಿಕೊಂಡರೆ ನ್ಯಾಯವಿಚಾರಣೆಗೊಳಗಾಗುವದಿಲ್ಲ. ೩೨ ಆದರೆ ನಾವು
ಕರ್ತನ ನ್ಯಾಯವಿಚಾರಣೆಗೆ ಒಳಗಾಗಿರಲಾಗಿ ಆತನು – ಇವರಿಗೆ ಲೋಕದವರ ಸಂಗಡ
ಅದರಾಧಿಗಳೆಂಬ ನಿರ್ಣಯವಾಗಬಾರದೆಂದು ನಮ್ಮನ್ನು ಶಿಕ್ಷಿಸುತ್ತಾನೆ. ೩೩ ಆದಕಾರಣ
ನನ್ನ ಸಹೋದರರೇ ಈ ಭೋಜನವನ್ನು ಮಾಡುವದಕ್ಕೆ ಕೂಡಿಬರುವಾಗ ಒಬ್ಬರನ್ನೊಬ್ಬರು
ಕಾದುಕೊಳ್ಳಲಿ. ೩೪ ಒಬ್ಬನು ಹಸಿದರೆ ಅವನು ಮನೆಯಲ್ಲೇ ಊಟಮಾಡಲಿ ನೀವು
ಕೂಡಿಬಂದದ್ದು ನ್ಯಾಯತೀರ್ಪಿಗೊಳಗಾಗುವದಕ್ಕೆ ಕಾರಣವಾಗಬಾರದು. ಮಿಕ್ಕಾದ ಸಂಗತಿಗಳನ್ನು
ನಾಣು ಬಂದಾಗ ಕ್ರಮಪಡಿಸುತ್ತೇನೆ.

## ಪವಿತ್ರಾತ್ಮನಿಂದುಂಟಾಗುವ ವರಗಳನ್ನು ಕುರಿತಿದ್ದು.

(೧೨.೧-೧೪.೪೦)

### ಪವಿತ್ರಾತ್ಮನಿಂದುಂಟಾಗುವ ವರಗಳು ಅನೇಕವಾಗಿದ್ದರೂ ಅವೆಲ್ಲಾ ಸಭೆಯ ಹಿತಕ್ಕೋಸ್ಕರ ಕೊಡಲ್ಪಟ್ಟಿವೆ ಎಂಬದು.

೧೨ ೧ ಸಹೋದರರೇ ಪವಿತ್ಆತ್ಮನಿಂದುಂಟಾಗುವ ವರಗಳನ್ನು ಕುರಿತು ನಿಮಗೆ
ತಿಳಿಯದಿರಬಾರದೆಂದು ಅಪೇಕ್ಷಿಸುತ್ತೇನೆ. ೨ ನೀವು ಅಜ್ಞಾನಿಗಳಾಗಿದ್ದಾಗ
ನಿಮಗೆ ಪ್ರೇರಣೆಯಾದ ಹಾಗೆ ಮೂಕ ವಿಗ್ರಹಗಳ ಬಳಿಗೆ ಹೋಗುತ್ತಿದ್ದಿರೆಂದು ಬಲ್ಲಿರಿ.
೩ ಹೀಗಿರುವದರಿಂದ ನಾನು ನಿಮಗೆ ತಿಳಿಸುವದನ್ನು ಕೇಳಿರಿ.ದೇವರಾತ್ಮನ ಪ್ರೇರಣೆಯಿಂದ
ಮಾತಾಡುವ ಯಾವ ಮನುಷ್ಯನಾದರೂ ಯೇಸುವನ್ನು ಶಾಪಗ್ರಸ್ತನೆಂದು ಹೇಳುವದಿಲ್ಲ. ಮತ್ತು
ಪವಿತ್ರಾತ್ಮನ ಪ್ರೇರಣೆಯಿಂದಲೇ ಹೊರತು ಯಾವ ಮನುಷ್ಯನಾದರೂ ಯೇಸುವನ್ನು ಕರ್ತನೆಂದು
ಹೇಳಲಾರನು.
೪ ವಿಧಗಳಲ್ಲಿ ಬೇರೆ ಬೇರೆ ವಿಧಗಳುಂಟು. ದೇವರಾತ್ಮನು ಒಬ್ಬನೇ. ೫ ಸೇವೆಗಳಲ್ಲಿ
ಬೇರೆ ಬೇರೆ ವಿಧಗಳುಂಟು ಕರ್ತನು ಒನ್ನೇ. ೬ ಕಾರ್ಯಗಳಲ್ಲಿ ಬೇರೆ ಬೇರೆ ವಿಧಗಳುಂಟು
ಸರ್ವರಲ್ಲಿಯೂ ಸರ್ವ ಕಾರ್ಯಗಳನ್ನು ಸಾಧಿಸುವ ದೇವರು ಒಬ್ಬನೇ. ೭ ಆದರೆ ಪ್ರತಿಯೊಬ್ಬನಲ್ಲಿ
ತೋರಿಬರುವ ದೇವರಾತ್ಮನ ವರಗಳು ಸರ್ವರ ಪ್ರಯೋಜನಾರ್ಥವಾಗಿ ಕೊಡಲ್ಪಟ್ಟಿವೆ.
೮ ಒಬ್ಬನಿಗೆ ದೇವರಾತ್ಮನ ಮೂಲಕ ಜ್ಞಾನವಾಕ್ಯವು ಒಬ್ಬನಿಗೆ ಆ ಆತ್ಮನ ಅನುಗುಣವಾಗಿ
ವಿದ್ಯಾವಾಕ್ಯವು ಒಬ್ಬನಿಗೆ ಆ ಆತ್ಮನಿಂದಲೇ ನಂಬಿಕೆಯು ೯ ಒಬ್ಬನಿಗೆ ಆ ಒಬ್ಬ ಆತ್ಮನಿಂಲೇ
ನಾನಾ ರೋಗಗಳನ್ನು ವಾಸಿಮಾಡುವ ವರವು, ೧೦ ಒಬ್ಬನಿಗೆ ಮಹತ್ತಾಗಳನ್ನು ಮಾಡುವ ವರವು.
ಒಬ್ಬನಿಗೆ ಪ್ರವಾಧನೆಯ ವರವು. ಒಬ್ಬನಿಗೆ ಸತ್ಯಸತ್ಯಾತ್ಮಗಳನ್ನು ವಿವೇಚಿಸುವ ವರವು
ಒಬ್ಬನಿಗೆ ವಿವಿಧ ವಾಣಿಗಳನ್ನಾಡುವ ವರವು.ಒಬ್ಬನಿಗೆ ವಾಣಿಗಳ ಅರ್ಥವನ್ನು ಹೇಳುವ ವರವು
ಕೊಡಲ್ಪಡುತ್ತದೆ. ೧೧ ಈ ವರಗಳನ್ನೆಲ್ಲಾ ಆ ಒಬ್ಬ ಆತ್ಮವೇ ತನ್ನ ಚಿತ್ತಕ್ಕೆ ಬಂದ ಹಾಗೆ ಒಬ್ಬೊಬ್ಬನಿಗೆ
ಹಂಚಿಕೊಟ್ಟು ನಡಿಸುತ್ತಾನೆ.
೧೨ ಹೇಗೆ ದೇಹವು ಒಂದಾಗಿದ್ದರೂ ಅದಕ್ಕಿರುವ ಅಂಗಗಳು ಅನೇಕವಾಗಿವೆಯೋ ಹೇಗೆ
ದೇಹದ ಅಂಗಗಳೆಲ್ಲವೂ ಅನೇಕವಾಗಿದ್ದು ಒಂದೇ ದೇಹವಾಗಿರುವದೋ ೧೩ ಹಾಗೆಯೇ ಕ್ರಿಸ್ತನು
ಯೆಹೂದ್ಯರಾಗಲಿ ದಾಸರಾಗಲಿ ಸ್ವತಂತ್ರರಾಗಲಿ ನಾವೆಲ್ಲರೂ ಒಂದೇ ದೇಹವಾಗುವದಕ್ಕಾಗಿ
ಒಂದೇ ಆತ್ಮದಲ್ಲಿ ದೀಕ್ಷಾಸ್ನಾನಮಾಡಿಸಿಕೊಂಡೆವು. ಒಂದೇ ಆತ್ಮ ನಮ್ಮೆಲ್ಲರಿಗೆ ಪಾನವಾಗಿ
ಕೊಡಲ್ಪಟ್ಟಿತು. ೧೪ ದೇಹವು ಒಂದೇ ಅಂಗವಲ್ಲ. ಸನೇಕ ಅಂಗಗಳುಳ್ಳದ್ದಾಗಿದೆ. ೧೫ ಕಾಲು

ನಾನು ಕೈಯಲ್ಲದ ಕಾರಣ ದೇಹಕ್ಕೆ ಸೇರಿದ್ದಲ್ಲವೆಂದು ಹೇಳಿದರೂ ಅದು ದೇಹಕ್ಕೆ
ಸೇರದೆ ಇರುವದೋ? ೧೬ ಕಿವಿ ನಾನು ಕಣ್ಣಲ್ಲದ ಕಾರಣ ನಾಣು ದೇಹಕ್ಕಸೇರಿದ್ದಲ್ಲವೆಂದು
ಹೇಳಿದರೂ ಅದು ದೇಹಕ್ಕೆ ಸೇರದೆ ಇರುವದೋ? ೧೭ ದೇಹವೆಲ್ಲಾ ಕಣ್ಣಾದರೆ ಕಿವಿಯೆಲ್ಲಿ?
ಅದೆಲ್ಲಾ ಕಿವಿಯಾದರೆ ಮೂಗೆಲ್ಲಿ? ೧೮ ಆದರೆ ದೇವರು ಆ ಅಂಗಗಳಲ್ಲಿ ಪ್ರತಿಯೊಂದನ್ನು
ತನಗೆ ಸರಿಯಾಗಿ ತೇಚಿದ ಪ್ರಕಾರ ದೇಹದೊಳಗೆ ಇಟ್ಟಿದ್ದಾನೆ. ೧೯ ಅವೆಲ್ಲವೂ ಒಂದೇ
ಅಂಗವಾಗಿದ್ದರೆ ದೇಹವೆಲ್ಲಿರುವದು? ೨೦ ಆದರೆ ಅಂಗಗಲೇನೋ ಅನೇಕ ದೇಹವು ಒಂದೇ.
೨೧ ಕಣ್ಣು ಕೈಗೆ – ನೀನು ನನಗೆ ಅವಶ್ಯವಿಲ್ಲವೆಂದೂ ತಲೆಯು ಕಾಲುಗಳಗೆ ನೀವು ನನಗೆ
ಅವಶ್ಯವಿಲ್ಲವೆಂದೂ ಹೇಳುವದಕ್ಕಾಗುವದಿಲ್ಲ ೨೨ ದೇಹದಲ್ಲಿ ಅಲ್ಪಬಲವುಳ್ಳವುಗಳಾಗಿ
ಕಾಣುವ ಅಂಗಗಳನ್ನು ಅತ್ಯವಶ್ಯವೆಂದು ತಿಳಿಯಬೇಕಲ್ಲವೋ? ೨೩ ಮತ್ತು ನಾವು ದೇಹದಲ್ಲಿ
ಅಲ್ಪಮಾನವುಳ್ಳವುಗಳೆಂದೆಣಿಸುವ ಭಾಗಗಳಿಗೆ ಉಡಿಗೆಯಿಂದ ಹೆಚ್ಚಾದ ಮಾನವನ್ನು
ಕೊಡುವದುಂಟಲ್ಲಾ. ಹೀಗೆ ಅಂದವಿಲ್ಲದ ಅಂಗಗಳಿಗೆ ಹೆಚ್ಚಾದ ಅಂದವುಂಟಾಗುತ್ತದೆ.
೨೪-೨೫ ಅಂದವುಳ್ಳ ಅಂಗಗಳಿಗೆ ಏನೂ ಅವಶ್ಯವಿಲ್ಲ. ದೇಹದಲ್ಲಿ ಭೇಧವೆನೂ ಇರದೇ ಅಂಗಗಳು
ಒಂದಕ್ಕೊಂದರ ಹಿತವನ್ನು ಚಿಂತಿಸುವ ಹಾಗೆ ದೇವರು ಕೊರತೆಯುಳ್ಳದ್ದಕ್ಕೆ ಹೆಚ್ಚಾದ ಮಾನವನ್ನು
ಕೊಟ್ಟು ದೇಹವನ್ನು ಹದವಾಗಿ ಕೂಡಿಸಿದ್ದಾನೆ. ೨೬ ಒಂದು ಅಂಗಕ್ಕೆ ನೋವಾದರೆ ಎಲ್ಲಾ
ಅಂಗಗಳಿಗೂ ನೋವಾಗುತ್ತದೆ. ಒಂದು ಅಂಗಕ್ಕೆ ಮರ್ಯಾದೆ ಬಂದರೆ ಎಲ್ಲಾ ಅಂಗಗಳಿಗೂ
ಸಂತೋಷವಾಗುತ್ತದೆ.

೨೭ ನೀವು ಕ್ರಿಸ್ತನ ದೇಹವು ಮತ್ತು ಒಬ್ಬೊಬ್ಬರಾಗಿ ಅದಕ್ಕೆ ಅಂಗಗಳಾಗಿದ್ದೀರಿ ೨೮ ದೇವರು
ತನ್ನ ಸಭೆಯಲ್ಲಿ ಮೊದಲನೆಯದಾಗಿ ಅಪೂಸ್ತಲರನ್ನು ಎರಡನೇಯದಾಗಿ ಪ್ರವಾದಿಗಳನ್ನು
ಮೂರನೇಯದಾಗಿ ಉಪದೇಶಕರನ್ನು ಇದ್ದಿದ್ದಾನೆ. ಆ ಮೇಲೆ ಮಹತ್ಕಾರ್ಯ ಮಾಡುವ ಶಕ್ತಿಯನ್ನು
ನಾನಾ ಗೋಗಗಳನ್ನು ವಾಸಿಮಾಡುವ ವರವನ್ನೂ ಪರಸಹಾಯ ಮಾಡುವ ಗುಣವನ್ನೂ ಕಾರ್ಯಗಳನ್ನು
ನಿರ್ವಹಿಸುವ ಜ್ಞಾನವನ್ನು ವಿವಿಧ ವಾಣಿಗಳನ್ನಾಡುವ ವರವನ್ನೂ ಅವರವರಿಗೆ ಕೊಟ್ಟಿದ್ದಾನೆ.
೨೯ ಎಲ್ಲರು ಅಪೋಸ್ತಲರೋ? ಎಲ್ಲರು ಪ್ರವಾದಿಗಳೋ? ಎಲ್ಲರೂ ಉಪದೇಶಕರೋ? ಎಲ್ಲರೂ
ಮಹತ್ಕಾರ್ಯಗಳನ್ನು ಮಾಡುವವರೋ? ೩೦ ರೋಗ ವಾಸಿಮಾಡುವ ವರಗಳು ಎಲ್ಲರಗೂ
ಉಂಟೋ? ಎಲ್ಲರೂ ವಾಣಿಗಳನ್ನಾಡುವರೋ? ವಾಣಿಗಳ ಅರ್ಥವನ್ನು ಹೇಳುವದಕ್ಕೆ ಎಲ್ಲರಗೂ
ಶಕ್ತಿಯುಂಟೋ? ೩೧ ಇವುಗಳಲ್ಲಿ ಶ್ರೇಷ್ಠ ವರಗಳನ್ನು ಆಸಕ್ತಿಯಿಂದ ಅಪೇಕ್ಷಿಸಿರಿ. ಇನ್ನೂ
ಉತ್ಕೃಷ್ಟವಾದ ಮಾರ್ಗವನ್ನು ನಿಮಗೆ ತೋರಿಸುತ್ತೇನೆ.

## ಪ್ರೀತಿಯ ಶ್ರೇಷ್ಟತೆ

೧೩ ೧ ನಾನು ಮನುಷ್ಯರ ಬಾಷೆಗಳನ್ನೂ ದೇವದೂತರ ಬಾಷೆಗಳನ್ನೂ ಆಡುವವನಾದರೂ
ಪ್ರೀತಿಯಿಲ್ಲದವನಾಗಿದ್ದರೆ ನಾದಕೊಡುವ ಕಂಚು ಗಣಗಣಿಸುವ ತಾಣವೂ
ಆಗಿದ್ದೇನೆ. ೨ ನನಗೆ ಪ್ರವಾದನವರವಿದ್ದರೂ ಎಲ್ಲಾ ರಹಸ್ಯಗಳೂ ಸಕಲ ವಿಧವಾದ
ವಿಧ್ಯೂ ತಿಳಿದರೂಬೆಟ್ಟಗಳನ್ನೂ ತೆಗೆದಿಡುವದಕ್ಕೆ ಬೇಕಾದದ್ದು ನಂಬಿಕೆಯಿದ್ದರೂ
ನಾನು ಪ್ರೀತಿಯಿಲ್ಲದವನಾಗಿದ್ದರೆ ಏನೂ ಅಲ್ಲದವನಾಗಿದ್ದೇನೆ. ೩ ನನಗಿರುವದೆಲ್ಲವನ್ನು
ಅನ್ನದಾನಮಾಡಿದರೂ ನನ್ನ ದೇಹವನ್ನು ಸುಡುವದಕ್ಕೆ ಒಪ್ಪಿಸಿದರೂ ಪ್ರೀತಿಯು ನನಗಿಲ್ಲದಿದ್ದರೆ
ನನಗೇನು ಪ್ರಯೋಜನವಾಗುವದಿಲ್ಲ.

೪ ಪ್ರೀತಿ ತಾಳ್ಮೆಯುಳ್ಳದ್ದು .ಪ್ರೀತಿದಯೆ ತೋರಿಸುವದು. ಪ್ರೀತಿಯು ಹೊಟ್ಟೆಕಿಚ್ಚು
ಪಡುವದಿಲ್ಲ. ಹೊಗಳಿಕೊಳ್ಳುವದಿಲ್ಲ. ಉಬ್ಬಿಕೊಳ್ಳುವದಿಲ್ಲ. ಮರ್ಯಾದೆಗೆಟ್ಟು ನಡೆಯುವದಿಲ್ಲ.
೫ ಸ್ವಪ್ರಯೋಜನವನ್ನು ಚಿಂತಿಸುವದಿಲ್ಲ. ಸಿಟ್ಟುಗೊಳ್ಳುವದಿಲ್ಲ. ಅಪಕಾರವನ್ನು ಮನಸ್ಸಿನಲ್ಲಿ
ಇಟ್ಟುಕೊಳ್ಳುವದಿಲ್ಲ. ೬ ಅನ್ಯಾಯವನ್ನು ನೋಡಿ ಸಂತೋಷಪಡದೇ ಸತ್ಯಕ್ಕೆ ಜಯವಾಗುವಲ್ಲಿ
ಸಂತೋಷಪಡುತ್ತದೆ. ೭ ಎಲ್ಲವನ್ನು ಅಡಗಿಸಿಕೊಳ್ಳುತ್ತದೆ. ಎಲ್ಲವನ್ನು ನಂಬುತ್ತದೆ. ಎಲ್ಲವನ್ನು
ನಿರೀಕ್ಷಿಸುತ್ತದೆ. ಎಲ್ಲವನ್ನು ಸಹಿಸಿಕೊಳ್ಳುತ್ತದೆ.

೮ ಪ್ರೀತಿಯು ಎಂದಿಗೂ ಬಿದ್ದುಹೋಗುವದಿಲ್ಲ. ಪ್ರವಾದನೆಗಳಾದರೂ ಇಲ್ಲದಂತಾಗುವವು.
ವಾಣಿಗಳೋ ನಿಂತುಹೋಗುವವು. ವಿದ್ಯೆಯೋ ಇಲ್ಲದಂತಾಗುವದು. ೯ ಅಪೂರ್ಣವಾಗಿ
ತಿಳುಕೊಳ್ಳುತ್ತೇವೆ. ಅಪೂರ್ಣವಾಗಿ ಪ್ರವಾದಿಸುತ್ತೇವೆ. ೧೦ ಆದರೆ ಸಂಪೂರ್ಣವಾದದ್ದು
ಬಂದಾಗ ಅಪೂರ್ಣವಾದದ್ದು ಇಲ್ಲದಂತಾಗುವದು. ೧೧ ನಾನು ಬಾಲಕವಾಗಿದ್ದಾಗ ಬಾಲಕನ
ಮಾತುಗಳನ್ನಾಡಿದೆನು. ಬಾಲಕನ ಸುಖದುಃಖಗಳನ್ನು ಅನುಭವಿಸಿದೆನು. ಬಾಲಕನ

ಆಲೋಚನೆಗಳನ್ನು ಮಾಡಿಕೊಂಡೆನು. ಪ್ರಾಯಸ್ಥನಾದ ಮೇಲೆ ಬಾಲ್ಯದವುಗಳನ್ನು ಬಿಟ್ಟುಬಿಟ್ಟೆನು.
೧೨ ಈಗ ಕಂಚಿನ ದರ್ಪಣದಲ್ಲಿ ಕಾಣಿಸುವಂತೆ ದೇವರ ಮುಖವು ನಮಗೆ ಮೊಬ್ಬಾಗಿ
ಕಾಣಿಸುತ್ತದೆ. ಆಗ ಮುಖ ಮುಖಿಯಾಗಿ ಆತನನ್ನು ನೋಡುವೆವು.ಈಗ ಸ್ವಲ್ಪ ಮಾತ್ರ ನನಗೆ
ತಿಳಿದಿದೆಆಗ ದೇವರು ನನ್ನನ್ನು ಸಂಪೂರ್ಣವಾಗಿ ತಿಳುಕೊಂಡಂತೆ ನಾನು ಸಂಪೂರ್ಣವಾಗಿ
ತಿಳುಕೊಳ್ಳುವೆನು. ೧೩ ಹೀಗಿರುವದರಿಂದ ನಂಬಿಕೆ ನಿರೀಕ್ಷೆ ಪ್ರೀತಿ ಈ ಮೂರೇ ನಿಲ್ಲುತ್ತದೆ.
ಇವುಗಳಲ್ಲಿ ದೊಡ್ಡದು ಪ್ರೀತಿಯೇ

## ವಾಣಿಗಳನ್ನಾಡುವ ವರಕ್ಕಿಂತ ಪ್ರವಾದಿಸುವ ವರವೇ ವಿಶೇಷವಾದದ್ದು.

೧೪ ೧ ಪ್ರೀತಿಯನ್ನು ಅಭ್ಯಾಸಮಾಡಿಕೊಳ್ಳಿರಿ. ಆದರೂ ಪವಿತ್ರಾತ್ಮನಿಂದುಂಟಾಗುವ
ವರಗಳನ್ನು ಅವುಗಳೊಳಗೆ ವಿಶೇಷವಾಗಿ ಪ್ರವಾದಿಸುವ ವರವನ್ನೇ ಆಸಕ್ತಿಯಿಂದ
ಅಪೇಕ್ಷಿಸಿರಿ. ೨ ವಾಣಿಗಳನ್ನಾಡುವವನು ದೇವರ ಸಂಗಡ ಮಾತಾಡುತ್ತಾನೆ ಹೊರತು ಮನುಷ್ಯರ
ಸಂಗಡ ಆಡುವದಿಲ್ಲ. ಅವನು ಆತ್ಮ ಪ್ರೇರಿತನಾಗಿ ರಹಸ್ಯಾರ್ಥಗಳನ್ನು ನುಡಿಯುತ್ತಿದ್ದರೂ ಯಾರೂ
ತಿಳುಕೊಳ್ಳುವದಿಲ್ಲ. ೩ ಪ್ರವಾದಿಸುವವನಾದರೋ ಮನುಷ್ಯರ ಸಂಗಡ ಮಾತಾಡುವವನಾಗಿ
ಅವರಿಗೆ ಭಕ್ತಿವೃದ್ಧಿಯನ್ನೂ ಪ್ರೋತ್ಸಾಹವನ್ನೂ ಸಂತೈಸುವಿಕೆಯನ್ನೂ ಉಂಟುಮಾಡುತ್ತಾನೆ.
೪ ವಾಣಿಗಳನ್ನಾಡುವವನು ತನಗೆ ಮಾತ್ರ ಭಕ್ತಿವೃದ್ಧಿಯನ್ನುಂಟುಮಾಡುತ್ತಾನೆ. ಪ್ರವಾದಿಸುವವನು
ಸಭೆಗೆ ಭಕ್ತಿವೃದ್ಧಿಯನ್ನುಂಟುಮಾಡುತ್ತಾನೆ. ೫ ನೀವೆಲ್ಲರೂ ವಾಣಿಗಳನ್ನಾಡಬೇಕೆಂದು ನಾನು
ಅಪೇಕ್ಷಿಸಿದರೂ ಅದಕ್ಕಿಂತಲೂ ನೀವು ಪ್ರವಾದಿಸಬೇಕೆಂಬುದೆ ನನ್ನಿಷ್ಟ. ವಾನೀಗಳನ್ನಾಡುವವನು
ಸಭೆಗೆ ಭಕ್ತಿವೃದ್ಧಿಯಾಗುವದಕ್ಕಾಗಿ ಆ ವಾಣಿಯ ಅರ್ಥವನ್ನು ಹೇಳದೆ ಹೋದರೆ ಅವನಿಗಿಂತ
ಪ್ರವಾದಿಸುವವನು ಶ್ರೇಷ್ಟ. ೬ ಹೀಗಿರುವದರಿಂದ ಸಹೋದರರೇ ನಾಣು ನಿಮ್ಮ ಬಳಿಗೆ
ಬಂದು ದೇವರು ತಿಳಿಸಿದ್ದನ್ನು ಪ್ರಕಟಿಸದೆ ಜ್ಞಾನವಾಕ್ಯವನ್ನಾಡದೆ ಪ್ರವಾದನೆಯನ್ನು ಹೇಳದೆ
ಉಪದೇಶಮಾಡದೆ ವಾಣಿಗಳನ್ನು ಮಾತ್ರ ಆಡುವವನಾಗಿದ್ದರೆ ನನ್ನಿಂದ ನಿಮಗೇನು
ಪ್ರಯೋಜನವಾದೀತು? ೭ ಕೊಳಲು ವೀಣೆ ಮೊದಲಾದ ಅಚೇತನವಾದ್ಯಗಳು ಸ್ವರಗಳಲ್ಲಿ
ಯಾವ ಭೇಧಗಳನ್ನೂ ತೋರಿಸದಿದ್ದರೆ ಊದಿದ್ದು ಅಥವಾ ಬಾರಿಸಿದ್ದು ಇಂಥದ್ದೇ ಎಂದು
ಹೇಗೆ ತಿಳಿಯುವದು? ೮ ತುತೂರಿಯು ಗೊತ್ತಿಲ್ಲದ ಶಬ್ದವನ್ನು ಕೊಟ್ಟರೆ ಯಾರು ಯುದ್ಧಕ್ಕೆ
ಸಿದ್ಧಮಾಡಿಕೊಳ್ಳುವರು? ೯ ಹಾಗೇಯೇ ನೀವು ತಿಳಿಯಬಹುದಾದ ಬಾಷೆಯನ್ನೂ ಬಾಯಿಂದ
ಆಡದೆ ಹೋದರೆ ನಿಮ್ಮ ಮಾತಿನ ಅರ್ಥವನ್ನು ಹೇಗೆ ತಿಳಿಯುವದು?ನೀವು ಗಾಳಿಯ
ಸಂಗಡ ಮಾತಾಡಿದ ಹಾಗಿರುವದಷ್ಟೆ. ೧೦ ಲೋಕದಲ್ಲಿ ಎಷ್ಟು ವಿಧವಾದ ಬಾಷೆಗಳಿದ್ದರೂ
ಅವುಗಳಲ್ಲಿ ಒಂದಾದರೂ ಅರ್ಥವಿಲ್ಲದ್ದಾಗಿರುವದಿಲ್ಲ. ೧೧ ಬಾಷೆಯ ಅರ್ಥವು ನನಗೆ
ತಿಳಿಯದಿದ್ದರೆ ಮಾತಾಡುವವನಿಗೆ ನಾನು ಅನ್ಯದೇಶದಂತಿರುವೆನು. ಮಾತಾಡುವವನು ನನಗೆ
ಅನ್ಯದೇಶದಂತಿರುವನು. ೧೨ ಹಾಗೆಯೆ ನೀವು ಆತ್ಮಪ್ರೇರಿತವಾದನುಡಿಗಳನ್ನಾಡುವದಕ್ಕೆ
ಅಪೇಕ್ಷಿಸುವವರಾಗಿರುವದರಿಂದ ಸಭೆಗೆ ಭಕ್ತಿವೃದ್ಧಿ ಯಂಟಾಗುವ ಹಾಗೆ ಅದಕ್ಕಿಂತಲೂ
ಹೆಚ್ಚಾದದ್ದನ್ನು ಮಾಡುವದಕ್ಕೆ ಪ್ರಯತ್ನಿಸಿರಿ. ೧೩ ಆದದರಿಂದ ವಾಣಿಯನ್ನಾಡುವವನು ತನಗೆ ಅದರ
ಅರ್ಥವನ್ನು ಹೇಳುವ ಶಕ್ತಿಯೂ ಉಂಟಾಗಬೇಕೆಂದು ದೇವರನ್ನು ಪ್ರಾರ್ಥಿಸಲಿ. ೧೪ ಯಾಕಂದರೆ
ನಾನು ವಾಣಿಯನ್ನಾಡುತ್ತಾ ದೇವರನ್ನು ಪ್ರಾರ್ಥಿಸಿದರೆ ನನ್ನಾತ್ಮವು ಪ್ರಾರ್ಥಿಸುವದೇ ಹೊರತು
ನನ್ನ ಬುದ್ದಿ ನಿಷ್ಫಲವಾಗುವದು. ೧೫ ಹಾಗಾದರೇನು? ನಾನು ಆತ್ಮದಿಂದ ಪ್ರಾರ್ಥಿಸುವೆನು.
ಬುದ್ದಿಯಿಂದಲೂ ಪ್ರಾರ್ಥಿಸುವೆನು. ಆತ್ಮದಿಂದ ಹಾಡುವೆನು ಬುದ್ದಿಯಿಂದಲೂ ಹಾಡುವೆನು.
೧೬ ನೀನು ಆತ್ಮದಿಂದ ಮಾತ್ರ ದೇವರ ಸ್ತೋತ್ರ ಮಾಡಿದರೆ ಆ ವರವನ್ನು ಹೊಂದದಿರುವ
ಸಭೆಯವನಿಗೆ ನೀನು ಹೇಳಿದ್ದು ತಿಳಿಯದೇ ಇರುವದರಿಂದ ನೀನು ಮಾಡುವ ಕೃತಜ್ಞತಾಸ್ತುತಿಗೆ
ಅವನು ಆಮೆನ್ ಎಂದು ಹೇಗೆ ಹೇಳಾನು? ೧೭ ನೀನಂತೂ ಚೆನ್ನಾಗಿ ಕೃತಜ್ಞತಾಸ್ತುತಿ ಮಾಡುತ್ತಿ
ಹೌದು ಆದರೆ ಬೇರೊಬ್ಬನು ಭಕ್ತಿವೃದ್ಧಿಹೊಂದುವದಿಲ್ಲ. ೧೮ ನಾನು ನಿಮ್ಮೆಲ್ಲರಿಗಿಂತಲೂ ಹೆಚ್ಚಾಗಿ
ವಾಣಿಗಳನ್ನಾಡುತ್ತೇನೆಂದು ದೇವರನ್ನು ಕೊಂಡಾಡುತ್ತೇನೆ. ೧೯ ಆದರೂ ಸಭೆಯಲ್ಲಿ ವಾಣಿಯಿಂದ
ಹತ್ತು ಸಾವಿರ ಮಾತುಗಳನ್ನಾಡುವದಕ್ಕಿಂತ ನನ್ನ ಬುದ್ದಿಯಿಂದ ಐದೇ ಮಾತುಗಳನ್ನಾಡಿ ಇತಱಿಗೆ
ಉಪದೇಶಮಾಡುವದು ನನಗೆ ಇಷ್ಟವಾದದ್ದು. ೨೦ ಸಹೋದರರೇ ಬುದ್ದಿಯ ವಿಷಯದಲ್ಲಿ
ಬಾಲಕರಾಗಿರಬೇಡಿರಿ. ಕೆಟ್ಟತನದ ವಿಷಯದಲ್ಲಿ ಶಿಶುಗಳಾಗಿಯೇ ಇದ್ದು ಬುದ್ದಿಯ
ವಿಷಯದಲ್ಲಿ ಪ್ರಾಯಸ್ಥರಾಗಿರಬೇಕು.

೨೧ ಅನ್ಯಬಾಷೆಯವರ ಮೂಲಕವಾಗಿಯೂ ಪರದೇಶಸ್ಥರ ನಾಲಿಗೆಯಿಂದಲೂ
ನಾನು ಈ ಜನರ ಸಂಗಡ ಮಾತಾಡುವೆನು. ಆದರೂ ಅವರು ನನ್ನ ಮಾತಿಗೆ
ಕಿವಿಗೊಡುವದಿಲ್ಲವೆಂದು ಕರ್ತನು ಹೇಳುತ್ತಾನೆಂಬದಾಗಿ ಧರ್ಮಶಾಸ್ತ್ರದಲ್ಲಿ ಬರೆದದೆ.
೨೨ ಆದದರಿಂದ ವಾಣಿಗಳನ್ನಾಡುವದು ನಂಬದವರಿಗೆ ಸೂಚನೆಯಾಗಿದೆ. ಹೊರತು
ನಂಬುವವರಿಗೆ ಸೂಚನೆಯಲ್ಲವೆಂದು ನಾವು ತಿಳುಕೊಳ್ಳಬೇಕು. ಆದರೆ ಪ್ರವಾದನೆಯು
ನಂಬದವರಿಗೊಸ್ಕರವಲ್ಲ.ನಂಬುವವರಿಗೋಸ್ಕರವಾಗಿದೆ. ೨೩ ಹೀಗಿರುವಲ್ಲಿ ಸಭೆಯೆಲ್ಲಾ
ಒಂದೇ ಸ್ಥಳದಲ್ಲಿ ಕೂಡಿಬಂದಾಗ ಎಲ್ಲರೂ ವಾಣಿಗಳನ್ನಾಡಿದರೆ ಈ ವರವನ್ನು ಹೊಂದಿದವರು
ಸಭೆಯವರು ಅಥವಾ ಕ್ರಿಸ್ತನಂಬಿಕೆಯಿಲ್ಲದವರು ಓಳಗೆ ಬಂದು ನೋಡಿ ನಿಮಗೆ ಹುಚ್ಚು
ಹಿಡಿದದೆ ಎಂದು ಹೇಳುವುದಿಲ್ಲವೋ? ೨೪ ಆದರೆ ನೀವೆಲ್ಲರು ಪ್ರವಾದಿಸುತ್ತಿರಲು
ಕ್ರಿಸ್ತನಂಬಿಕೆಯಿಲ್ಲದವನಾಗಲಿ ಈ ವರವಿಲ್ಲದವನಾಗಲಿ ಒಳಗೆ ಬಂದರೆ ಅವನು ಎಲ್ಲರ
ಮಾತನ್ನು ಕೇಳಿ ತಾನು ಪಾಪಿಯೆಂಬ ಅರುಹನ್ನು ಹೊಂದುವನು. ಎಲ್ಲರ ಮಾತಿನಿಂದ
ಪರಿಶೋಧಿತನಾಗುವನು. ೨೫ ಅವನ ಹೃದಯದ ರಹಸ್ಯಗಳು ಬೈಲಾಗುವವು. ಮತ್ತು ಅಡ್ಡಬಿದ್ದು
ದೇವರನ್ನು ಆರಾಧಿಸಿ- ದೇವರು ನಿಜವಾಗಿ ನಿಮ್ಮಲ್ಲಿದ್ದನೆಂಬದನ್ನು ಪ್ರಚುರ ಪಡಿಸುವನು.

### ಸಭೆಯಲ್ಲಿಎಲ್ಲರೂ ಮರ್ಯಾದೆಯಿಂದ ನಡೆಯಬೇಕೆಂಬುವ ಬೋಧೆ.

೨೬ ಹಾಗಾದರೇನು ಸಹೋದರರರೇ? ನೀವು ಕೂಡಿಬಂದಿರುವಾಗ ಒಬ್ಬನು ಹಾಡುವದು
ಒಬ್ಬನು ಉಪದೇಶಮಾಡುವದೂ ಒಬ್ಬನು ತನಗೆ ಪ್ರಕಟವಾದದ್ದನ್ನು ತಿಳಿಸುವದೂ ಒಬ್ಬನು
ವಾಣಿಯನ್ನಾಡುವದೂ ಒಬ್ಬನು ಅದರ ಅರ್ಥವನ್ನು ಹೇಳುವದು ಉಂಟಷ್ಟೆ. ನೀವು ಏನೂ
ನಡೆಸಿದರೂ ಭಕ್ತಿವೃದ್ಧಿಗಾಗಿಯೇ ನಡಿಸಿರಿ. ೨೭ ವಾಣಿಗಳನ್ನಾಡುವದದರೆ ಇಬ್ಬರು ಅಥವಾ
ಅವಶ್ಯವಿದ್ದರೆ ಮೂವರಿಗಿಂತ ಹೆಚ್ಚಿಲ್ಲದೆ ಒಬ್ಬೊಬ್ಬರಾಗಿ ಮಾತಾಡಬೇಕು. ೨೮ ಮತ್ತು ಒಬ್ಬನೇ
ಅದರ ಅರ್ಥವನ್ನು ಹೇಳಬೇಕು. ಅರ್ಥವನ್ನು ಹೇಳುವವನಿಲ್ಲದಿದ್ದರೆ ವಾಣಿಗಳನ್ನಾಡುವವನು
ಸುಮ್ಮಗಿರಲಿ. ತನ್ನೊಂದಿಗೆಯೂ ದೇವರೊಂದಿಗೆಯೂ ಮಾತಾಡಿಕೊಳ್ಳಲಿ. ೨೯ ಪ್ರವಾದಿಗಳು
ಇಬ್ಬರಾಗಲಿ ಮೂವರಾಗಲಿ ಮಾತಾಡಲಿ. ಮಿಕ್ಕಾದವರು ಕೇಳಿ ವಿವೇಚನೆ ಮಾಡಲಿ.
೩೦ ಕೂತಿರುವ ಮತ್ತೊಬ್ಬನಿಗೆ ಪ್ರಕಟನೆ ಉಂಟಾದರೆ ಮೊದಲಿನವನು ಸುಮ್ಮಗಾಗಲಿ
೩೧ ನೀವೆಲ್ಲರೂ ಒಬ್ಬೊಬ್ಬರಾಗಿ ಪ್ರವಾದಿಸುವದಕ್ಕೆ ಅಡ್ಡಿಯಿಲ್ಲ. ಹೀಗೆ ಮಾಡಿದರೆ ಎಲ್ಲರೂ
ಕಲಿತುಕೊಳ್ಳುವರು. ಎಲ್ಲರೂ ಎಚ್ಚರಿಕೆ ಹೊಂದುವರು. ೩೨ ಪ್ರವಾದಿಗಳ ಆತ್ಮಗಳು ಪ್ರವಾದಿಗಳ
ಸ್ವಾಧೀನದಲ್ಲಿ ಅವೆ. ೩೩ ದೇವರು ಸಮಾಧನಕ್ಕೆ ಕಾರಣನೇ ಹೊರತು ಗಲಿಬಿಲಿಗೆ ಕಾರಣನಲ್ಲ.
೩೪ ದೇವಜನರ ಎಲ್ಲಾ ಸಭೆಗಳ ಮರ್ಯಾದೆಯ ಪ್ರಕಾರ ಸ್ತ್ರೀಯರು ಸಭೆಯ ಕೂಟದಲ್ಲಿ
ಸುಮ್ಮನಿರಬೇಕು. ಮಾತಾಡುವದಕ್ಕೆ ಅವರಿಗೆ ಅಪ್ಪಣೆಯಿಲ್ಲ. ಅವರು ಅಧೀನದಲ್ಲಿರಬೇಕು.
ಧರ್ಮಶಾಸ್ತ್ರದಲ್ಲಿಯೂ ಹೀಗೆ ಹೇಳಿದೆಯಲ್ಲಾ ೩೫ ಅವರು ಏನಾದರೂ ತಿಳುಕೊಳ್ಳುವದಕ್ಕೆ
ಅಪೇಕ್ಷಿಸಿದರೆ ಮನೆಯಲ್ಲಿ ತಮ್ಮ ಗಂಡಂದಿರನ್ನು ಕೇಳಲಿ. ಸ್ತ್ರೀಯರು ಸಭೆಯಲ್ಲಿ
ಮಾತಾಡುವದು ನಾಚಿಕೆಗೆಟ್ಟ ಕೆಲಸವಾಗಿದೆ ೩೬ ಏನು ದೇವರ ವಾಕ್ಯವು ನಿಮ್ಮಿಂದಲೇ
ಹೊರಟಿತೋ? ನಿಮಗೆ ಮಾತ್ರವೇ ಬಂತೋ? ೩೭ ಯಾವನಾದರೂ ತನ್ನನ್ನು ಪ್ರವಾದಿಯೆಂದಾಗಲಿ
ದೇವರಾತ್ಮನಿಂದ ನಡೆಸಲ್ಪಡುವವನೆಂದಾಗಲಿ ಭಾವಿಸಿಕೊಂಡರೆ ನಾನು ನಿಮಗೆ ಬರೆದಿರುವ
ಸಂಗತಿಗಳು ಕರ್ತನ ವಿಧಿಯೇ ಎಂದು ಚೆನ್ನಾಗಿ ತಿಳುಕೊಳ್ಳಲಿ ೩೮ ಯಾವನಾದರೂ ತನಗೆ
ಇದು ಗೊತ್ತಿಲ್ಲವೆಂರೆ ಅವನು ಗೊತ್ತಿಗೆ ಬಾರದವನು. ೩೯ ಆದಕಾರಣ ನನ್ನ ಸಹೋದರರರೇ,
ಪ್ರವಾದಿಸುವದಕ್ಕೆ ಆಸಕ್ತಿಯಿಂದ ಅಪೇಕ್ಷಿಸಿರಿ. ಮತ್ತು ವಾಣಿಯನ್ನಾಡುವದಕ್ಕೆ
ಬೇಡವೆನ್ನಬೇಡಿರಿ. ೪೦ ಆದರೆ ಎಲ್ಲವೂ ಮರ್ಯಾದೆಯಿಂದಲೂ ಕ್ರಮದಿಂದಲೂ ನಡೆಯಲಿ.

### ಸತ್ತವರು ಜೀವಿತರಾಗಿ ಎದ್ದು ಬರುವದನ್ನು ಕುರಿತದ್ದು

(೧೫. ೧-೫೮)

### ಕ್ರಿಸ್ತನು ಎದ್ದು ಬಂದನೆಂಬದಕ್ಕೆ ಸಾಕ್ಷಿಗಳು

೧೫ ೧ ಸಹೋದರರರೇ, ನಾನು ನಿಮಗೆ ತಿಳಿಸಿದ ಸುವಾರ್ತೆಯನ್ನು ನಿಮ್ಮ ನೆನಪಿಗೆ
ತರುತ್ತೇನೆ. ನೀವು ಅದನ್ನು ಸ್ವೀಕರಿಸಿದಿರಿ. ಅದರಲ್ಲಿ ನಿಂತಿದ್ದೀರಿ. ೨ ನಾನು
ಯಾವ ಸಂಗತಿಯನ್ನು ಹೇಳಿ ನಿಮಗೆ ಸುವಾರ್ತೆಯನ್ನು ತಿಳಿಸಿದೆನೋ ನೀವು ಅದನ್ನು

ಘಟ್ಟಿಯಾಗಿ ಹಿಡುಕೊಂಡರೆ ಮತ್ತು ನಿಮ್ಮ ನಂಬಿಕೆಯು ನಿರಾದಾರವಾಗಿ ಪಕ್ಷಕ್ಕೆ ಆ
ಸುವಾರ್ತೆಯಿಂದ ನಿಮಗೆ ರಕ್ಷಣೆಯಾಗುತ್ತದೆ. ೩ ನಾನು ನಿಮಗೆ ತಿಳಿಸಿದ ಮೊದಲನೆಯ
ಸಂಗತಿಗಳೊಳಗೆ ಒಂದು ಸಂಗತಿಯನ್ನು ನಿಮಗೆ ತಿಳಿಸಿಕೊಟ್ಟೆನು. ಅದು ನಾನು ಸಹ
ಕಲಿತುಕೊಂಡದ್ದೇ.ಅದೇನಂದರೆ ಶಾಸ್ತ್ರದಲ್ಲಿ ಮುಂತಿಳಿಸುವ ಪ್ರಕಾರ ಕ್ರಿಸ್ತನು ನಮ್ಮ
ಪಾಪಗಳ ನಿವಾರಣೆಗಾಗಿ ಸತ್ತನು. ಹೂಣಲ್ಪಟ್ಟನು. ೪ ಶಾಸ್ತ್ರದ ಪ್ರಕಾರವೇ ಮೂರನೇಯ
ದಿನದಲ್ಲಿ ಎಬ್ಬಿಸಲ್ಪಟ್ಟನು. ೫ ಕೇಫನಿಗೂ ಆ ಮೇಲೆ ಹನ್ನೆರಡು ಮಂದು ಅಪೊಸ್ತಲರಿಗೆ
ಕಾಣಿಸಿಕೊಂಡನು. ೬ ತರುವಾಯ ಒಂದೇ ಸಮಯದಲ್ಲಿ ಐನೂರು ಮಂದಿಗಿಂತ ಹೆಚ್ಚು
ಸಹೋದರರಿಗೆ ಕಾಣಿಸಿಕೊಂಡನು. ಇವರಲ್ಲಿ ಹೆಚ್ಚು ಜನರು ಇಂದಿನವರೆಗೂ ಇದ್ದಾರೆ.
ಕೆಲವರು ನಿದ್ರೆ ಹೋಗಿದ್ದಾರೆ. ೭ ತರುವಾಯ ಆತನು ಯಾಕೋಬನಿಗೂ ಆಮೇಲೆ
ಅಪೊಸ್ತಲರೆಲ್ಲರಿಗೂ ಕಾಣಿಸಿಕೊಂಡನು. ೮ ಕಟ್ಟಕಡೆಗೆ ದಿನತುಂಬದೆ ಹುಟ್ಟಿದವನಂತಿರುವ
ನನಗೂ ಕಾಣಿಸಿಕೊಂಡನು. ೯ ನಾನಂತೂ ಅಪೊಸ್ತಲರಲ್ಲಿ ಕನಿಷ್ಠನಷ್ಟೆ. ನಾನು ದೇವರ ಸಭೆಯನ್ನು
ಹಿಂಸೆಪಡಿಸಿದ್ದರಿಂದ ಅಪೊಸ್ತಲನೆನಿಸಿಕೊಳ್ಳುವದಕ್ಕೆ ಯೋಗ್ಯನಲ್ಲ. ೧೦ ಆದರೆ ನಾನು
ಎಂಥವನಾಗಿದ್ದೇನೋ ದೇವರ ಕೃಪೆಯಿಂದಲೇ ಅಂಥವನಾಗಿದ್ದೇನೆ. ನನಗುಂಟಾದ ಆತನ
ಕೃಪೆಯು ನಿಷ್ಫಲವಾಗಲಿಲ್ಲ. ನಾಣು ಅವರೆಲ್ಲರಿಗಿಂತಲೂ ಹೆಚ್ಚಾಗಿ ಪ್ರಯಾಸಪಟ್ಟೆನು. ಆದರೆ
ಪ್ರಯಾಸಪಟ್ಟವನು ನಾನಲ್ಲ. ನನ್ನೊಂದಿಗಿರುವ ದೇವರ ಕೃಪೆಯೇ. ೧೧ ಹಾಗಾದರೆ ನಾನಾದರೇನು?
ಅವರಾದರೇನು? ಆ ಸಂಗತಿಗಳನ್ನೇ ಸಾರುತ್ತೇವೆ. ಅವುಗಳನ್ನು ನೀವು ನಂಬಿದಿರಿ.

ಕ್ರಿಸ್ತನು ಜೀವಿತನಾಗಿ ಎದ್ದು ಬಂದದರಿಂದ ಆತನ ಭಕ್ತರೂ ಎದ್ದು ಬರುವರು.

೧೨ ಕ್ರಿಸ್ತನು ಸತ್ತವರೊಳಗಿಂದ ಎಬ್ಬಿಸಲ್ಪಟ್ಟನೆಂದು ಸಾರೋಣವಾಗುತ್ತಿರುವಲ್ಲಿ ನಿಮ್ಮೊಳಗೆ
ಕೆಲವರು ಸತ್ತವರಿಗೆ ಪುನರುತ್ಥಾನವೇ ಇಲ್ಲವೆಂದು ಹೇಳುವದು ಹೇಗೆ? ೧೩ ಸತ್ತವರಿಗೆ
ಪುನರುತ್ಥಾನವಿಲ್ಲವೆಂಬದು ನಿಜವಾಗಿದ್ದರೆ ಕ್ರಿಸ್ತನಾದರೂ ಎದ್ದುಬರಲಿಲ್ಲ. ೧೪ ಕ್ರಿಸ್ತನು ಎದ್ದು
ಬರಲಿಲ್ಲವಾದರೆ ನಮ್ಮ ಪ್ರಸಂಗವು ಹುರುಳಿಲ್ಲದ್ದು ಮತ್ತು ನಿಮ್ಮ ನಂಬಿಕೆಯೂ ಹುರುಳಿಲ್ಲದ್ದು.
೧೫ ಇದಲ್ಲದೆ ಸತ್ತವರು ಎದ್ದುಬರುವದಿಲ್ಲವೆಂಬದು ನಿಜವಾಗಿದ್ದ ಪಕ್ಷದಲ್ಲಿ ದೇವರು ಕ್ರಿಸ್ತನನ್ನು
ಎಬ್ಬಿಸಲೇ ಇಲ್ಲ. ಎಬ್ಬಿಸಿದನೆಂದು ಸಾಕ್ಷಿಕೊಟ್ಟ ನಾವು ದೇವರ ವಿಷಯವಾಗಿ ಸುಳ್ಳುಸಾಕ್ಷಿ
ಹೇಳಿದವರಾಗಿ ಕಂಡುಬಂದೆವು. ೧೬ ಸತ್ತವರು ಎದ್ದು ಬರುವದಿಲ್ಲವಾದರೆ ಕ್ರಿಸ್ತನೂ ಎದ್ದು
ಬರಲಿಲ್ಲ. ೧೭ ಕ್ರಿಸ್ತನು ಎದ್ದುಬರಲಿಲ್ಲವಾದರೆ ನಿಮ್ಮ ನಂಬಿಕೆಯು ನಿಷ್ಪ್ರಯೋಜನವಾಗಿದೆ.
ನೀವು ಇನ್ನೂ ನಿಮ್ಮ ಪಾಪಗಳಲ್ಲಿಯೇ ಇದ್ದೀರಿ. ೧೮ ಇದು ಮಾತ್ರವಲ್ಲದೆ ಕ್ರಿಸ್ತನವರಾಗಿ
ನಿದ್ರೆಹೋದವರು ನಾಶವಾದರು. ೧೯ ಈ ಜೀವಮಾನದ ಕಾಲದ ಪೂರ್ತಿಗೆ ನಾವು ಕ್ರಿಸ್ತನಲ್ಲಿ
ನಿರೀಕ್ಷೆಯಿಟ್ಟುಕೊಂಡದ್ದೇ ಹೊರತು ಮತ್ತೇನೂ ಇಲ್ಲದಿದ್ದರೆ ಎಲ್ಲಾ ಮನುಷ್ಯರಲ್ಲಿಯೂ
ನಿರ್ಭಾಗ್ಯರೇ ಸರಿ.
೨೦ ಆದರೆ ಕ್ರಿಸ್ತನು ಸತ್ತವರೊಳಗಿಂದ ಎದ್ದು ಬಂದೆ ಇದ್ದಾನೆ. ನಿದ್ರೆಹೋದವರಲ್ಲಿ
ಪ್ರಥಮ ಫಲವಾದನು. ೨೧ ಮನುಷ್ಯನ ಮೂಲಕ ಮರಣ ಉಂಟಾದ ಕಾರಣ ಮನುಷ್ಯನ ಮೂಲಕ
ಸತ್ತವರಿಗೆ ಪುನರುತ್ಥಾನವುಂಟಾಗುವದು. ೨೨ ಯಾವ ಪ್ರಕಾರ ಆದಾಮನ ಸಂಬಂಧದಿಂದ ಎಲ್ಲರೂ
ಸಾಯುವವರಾದರೋ ಅದೇ ಪ್ರಕಾರ ಕ್ರಿಸ್ತನ ಸಂಬಂಧದಿಂದ ಎಲ್ಲರೂ ಜೀವಿತರಾಗುವರು.
೨೩ ಆದರೆ ಪ್ರತಿಯೊಬ್ಬನು ತನ್ನ ತನ್ನ ತರಗತಿಯಲ್ಲಿರುವನು. ಕ್ರಿಸ್ತನು ಪ್ರಥಮಫಲ. ತರುವಾಯ
ಕ್ರಿಸ್ತನ ಪ್ರತ್ಯೇಕ್ಷತೆಯಲ್ಲಿ ಆತನವರು ಎದ್ದು ಬರುವರು. ೨೪ ಆ ಮೇಲೆ ಆತನು ಬೇರೆ ಎಲ್ಲಾ
ದೊರೆತನವನ್ನೂ ಎಲ್ಲಾ ಅಧಿಕಾರವನ್ನೂ ಬಲವನ್ನೂ ನಿವೃತ್ತಿಮಾಡಿ ತಂದೆಯಾದ ದೇವರಿಗೆ
ರಾಜ್ಯವನ್ನು ಒಪ್ಪಿಸಿಕೊಡುವಾಗ ಸಮಾಪ್ತಿ. ೨೫ ಯಾಕಂದರೆ ತಾನು ಎಲ್ಲಾ ವರೋಧಿಗಳನ್ನು ತನ್ನ
ಪಾದಗಳ ಕೆಳಗೆ ಹಾಕಿಕೊಳ್ಳುವ ತನಕ ರಾಜ್ಯವನ್ನಾಳುವದು ಅವಶ್ಯ. ೨೬ ಮರಣವು ಕಡೇ ಶತ್ರುವಾಗಿ
ನಿವೃತ್ತಿಯಾಗುವದು. ೨೭ ದೇವರು ಸಮಸ್ತವನ್ನೂ ಆತನ ಪಾದಗಳ ಕೆಳಗೆ ಹಾಕಿ ಆತನಿಗೆ
ಅಧೀನಮಾಡಿದ್ದಾನೆಂಬದಾಗಿ ಹೇಳಿಯದೆಯಲ್ಲಾ ಸಮಸ್ತವೂ ಆತನಿಗೆ ಅಧೀನಮಾಡಲ್ಪಟ್ಟದೆ
ಎಂದು ಹೇಳುವಾಗ ಸಮಸ್ತವನ್ನು ಅಧೀನಮಾಡಿ ಕೊಟ್ಟಾತನು ಅದರಲ್ಲಿ ಸೇರಲಿಲ್ಲವೆಂಬದು
ಸ್ಪಷ್ಟವಾಗಿದೆ. ೨೮ ಸಮಸ್ತವೂ ಆತನಿಗೆ ಅಧೀನವಾದ ಮೇಲೆ ಮಗನು ಸಮಸ್ತವನ್ನೂ ತನಗೆ
ಅಧೀನಮಾಡಿ ಕೊಟ್ಟಾತನಿಗೆ ತಾನೇ ಅಧೀಣಾಗುವನು ಹೇಗೆ ದೇವರು ಸಮಸ್ತರಲ್ಲಿಯೂ
ಸಮಸ್ತವೂ ಆಗುವನು.

೨೯ ಸತ್ತವರಿಗೆ ಪುನರುತ್ಥಾನವಿಲ್ಲವಾದರೆ ಸತ್ತವರಿಗೋಸ್ಕರ ದೀಕ್ಷಾಸ್ನಾನ
ಮಾಡಿಸಿಕೊಳ್ಳುವವರು ಏನು ಮಾಡುವರು. ಸತ್ತವರು ಎದ್ದು ಬರುವದೇ ಇಲ್ಲವೆಂದು
ನಿಜವಾಗಿದ್ದರೆ ಯಾಕೆ ಅವರಿಗೋಸ್ಕರ ದೀಕ್ಷಾಸ್ನಾನ ಮಾಡಿಸಿಕೊಳ್ಳುತ್ತಾರೆ. ೩೦ ನಾವು
ಸಹ ಪ್ರತಿ ಗಳಿಗೆಯಲ್ಲಿಯೂ ಯಾಕೆ ಜೀವದ ಭಯದಿಂದಿದ್ದೇವೆ. ? ೩೧ ಸಹೋದರರೇ,
ನಮ್ಮ ಕರ್ತನಾದ ಕ್ರಿಸ್ತ ಯೇಸುವಿನಲ್ಲಿ ನಿಮ್ಮನ್ನು ಕುರಿತು ನನಗಿರುವ ಹೆಚ್ಚಳದ ಮೇಲೆ
ಆಣೆ ಇಟ್ಟು ನಾನು ದಿನಾಲು ಸಾಯುತ್ತಲಿದ್ದೇನೆ ಎಂದು ಹೇಳುತ್ತೇನೆ. ೩೨ ನಾನು ಎಫೆಸದಲ್ಲಿ
ಮೃಗಗಳೊಂದಿಗೆ ಯುದ್ಧ ಮಾಡಿದ್ದು ಕೇವಲ ಮಾನುಷಾಭಿಪ್ರಾಯದಿಂದಾದರೆ ನನಗೇನು
ಪ್ರಯೋಜನ? ಸತ್ತವರು ಎದ್ದು ಬರುವದಿಲ್ಲವಾದರೆ ತಿನ್ನೋಣ ಕುಡಿಯೋಣ ನಾಳೆ
ಸಾಯುತ್ತೇವಲ್ಲಾ ೩೩ ಮೋಸಹೋಗಬೇಡಿರಿ. ದುಸ್ಸಹವಾಸವು ಸದಾಚಾರವನ್ನು ಕೆಡಿಸುತ್ತದೆ.
೩೪ ಇಂಥ ಅಮಲಿನಿಂದೆಚ್ಚೆತ್ತು ನೀತಿವಂತರಾಗಿ ಪಾಪವನ್ನು ಬಿಟ್ಟುಬಿಡಿರಿ. ಕೆಲವರಿಗೆ ದೇವರ
ವಿಷಯದಲ್ಲಿ ಜ್ಞಾನವೇ ಇಲ್ಲ. ನಿಮಗೆ ನಾಚಿಕೆ ಹುಟ್ಟಬೇಕೆಂದು ಇದನ್ನು ಹೇಳುತ್ತೇನೆ.

ಸತ್ತವರು ಯಾವ ಸ್ಥಿತಿಯಲ್ಲಿ ಎದ್ದುಬರುವರೆಂಬದನ್ನು ಕುರಿತದ್ದು.

೩೫ ಸತ್ತವರು ಹೇಗೆ ಎಬ್ಬಿಸಲ್ಪಡುತ್ತಾರೆ ಎಂಥ ದೇಹದಿಂದ ಬರುತ್ತಾರೆ ಎಂದು ಒಬ್ಬನು ಕೇಳಾನು.
೩೬ ಮೂಢನು ನೀನು ನೀನು ಬಿತ್ತುವ ಬೀಜವು ಸಾಯದಿದ್ದರೆ ಜೀವಿತವಾಗುವದಿಲ್ಲ. ೩೭ ನೋಡು
ಒಂದು ವೇಳೆ ಗೋಧಿಯನ್ನಾಗಲಿ ಬೇರೆ ಯಾವದೋ ಬೀಜವನ್ನಾಗಲಿ ಬಿತ್ತುವಾಗ ಬರೀ
ಕಾಳನ್ನೇ ಹೊರತು ಮುಂದೆ ಆಗಬೇಕಾದ ದೇಹವನ್ನು ಬಿತ್ತುವದಿಲ್ಲ. ೩೮ ಆದರೆ ದೇವರು ತನ್ನ
ಇಷ್ಟದಂತೆ ಅದಕ್ಕೆ ದೇಹವನ್ನು ಕೊಡುತ್ತಾನೆ. ಒಂದೊಂದು ಬೀಜಕ್ಕೆ ಅದರದರ ದೇಹವನ್ನು
ಕೊಡುತ್ತಾನೆ. ೩೯ ಎಲ್ಲಾ ಶರೀರಗಳು ಒಂದೇ ವಿಧವಾದವುಗಳಲ್ಲ. ಮನುಷ್ಯನ ಶರೀರ ಬೇರೆ,
ಪಶುಗಳ ಶರೀರ ಬೇರೆ , ಪಕ್ಷಿಗಳ ಶರೀರ ಬೇರೆ ಮೀನುಗಳದು ಬೇರೆ. ೪೦ ಇದಲ್ಲದೆ ಪರಲೋಕದ
ದೇಹಗಳುಂಟು. ಭೂಲೋಕದ ದೇಹಗಳುಂಟು. ಆದರೆ ಪರಲೋಕದ ದೇಹಗಳು ಮಹಿಮೆ ಬೇರೆ
ಭೂಲೋಕದ ದೇಹಗಳ ಮಹಿಮೆ ಬೇರೆ. ೪೧ ಸೂರ್ಯನ ಮಹಿಮೆ ಒಂದು ವಿಧ ಚಂದ್ರನ
ಮಹಿಮೆ ಮತ್ತೊಂದು ವಿಧ. ನಕ್ಷತ್ರಗಳ ಮಹಿಮೆ ಇನ್ನೊಂದು ವಿಧ. ಮಹಿಮೆಯಲ್ಲಿ ಒಂದು
ನಕ್ಷತ್ರಕ್ಕೂ ಇನ್ನೊಂದು ನಕ್ಷತ್ರಕ್ಕೂ ಹೆಚ್ಚುಕಡಿಮೆಯುಂಟಷ್ಟೆ.
೪೨ ಸತ್ತವರಿಗಾಗುವ ಪುನರುತ್ಥಾನವು ಅದೇ ಪ್ರಕಾರವಾಗಿರುವದು. ದೇಹವು ಲಯಾವಸ್ಥೆಯಲ್ಲಿ
ನಿತ್ತಿಲ್ಪಡುತ್ತದೆ. ನಿರ್ಲಯಾವಸ್ಥೆಯಲ್ಲಿ ಎದ್ದುಬರುವದು. ೪೩ ಹೀನಾವಸ್ಥೆಯಲ್ಲಿ ಬಿತ್ತಲ್ಪಡುತ್ತದೆ.
ಮಹಿಮೆಯಲ್ಲಿ ಎದ್ದು ಬರುವದು. ನಿರ್ಬಲಾವಸ್ಥೆಯಲ್ಲಿ ಬಿತ್ತಲ್ಪಡುತ್ತದೆ ಬಲಾವಸ್ಥೆಯಲ್ಲಿ
ಎದ್ದುಬರುವದು. ೪೪ ಪ್ರಾಕೃತ ದೇಹವಾಗಿ ಬಿತ್ತಲ್ಪಡುತ್ತದೆ ಆತ್ಮೀಕ ದೇಹವಾಗಿ ಎದ್ದುಬರುವದು.
ಪ್ರಾಕೃತದೇಹವಿರುವದಾದರೆ ಆತ್ಮೀಕ ದೇಹವೂ ಇರುವದು. ೪೫ ಮೊದಲನೆಯ ಮನುಷ್ಯನಾದ
ಆದಾಮನು ಬದುಕುವ ಪ್ರಾಣಿಯಾದನೆಂದು ಬರೆದದೆಯಲ್ಲಾ. ಕಡೇ ಆದಾಮನೋ ಬದುಕಿಸುವ
ಆತ್ಮನು. . ೪೬ ಆತ್ಮೀಕವಾದದ್ದು ಮೊದಲನೇಯದಲ್ಲಾ. ಪ್ರಾಕೃತವಾದದ್ದು ಮೊದಲನೇದು ಆ
ಮೇಲೆ ಆತ್ಮೀಕವಾದದ್ದು. ೪೭ ಭೂಮಿಯೊಳಗಿಂದ ಉತ್ಪನ್ನಾಗಿ ಮಣ್ಣಿಗೆ ಸಂಬಂಧಪಟ್ಟವನು
.ಎರಡನೇಯ ಮನುಷ್ಯನು ಪರಲೋಕದಿಂದ ಬಂದವನು. ೪೮ ಮಣ್ಣಿನಿಂದ ಹುಟ್ಟಿದವನು
ಎಂಥವನೋ ಮಣ್ಣಿಗೆ ಸಂಭಂದಪಟ್ಟವರೂ ಅಂಥವರೇ. ೪೯ ನಾವು ಮಣ್ಣಿನಿಂದ ಹುಟ್ಟಿದವನ
ಸಾರೂಪ್ಯವನ್ನು ಧರಿಸಿಕೊಂಡಿರುವ ಪ್ರಕಾರ ಪರಲೋಕದಿಂದ ಬಂದಾತನು ಸಾರೂಪ್ಯವನ್ನೂ
ಧರಿಸಿಕೊಳ್ಳಬೇಕು.
೫೦ ಸಹೋದರರೇ ನಾನು ಹೇಳುವದೇನಂದರೆ ರಕ್ತಮಾಂಸವು ದೇವರ ರಾಜ್ಯಕ್ಕೆ
ಬಾದ್ಯವಾಗಲಾರದು. ಲಯವಾಗುವ ವಸ್ತು ನಿರ್ಲಯಪದವಿಗೆ ಬಾಧ್ಯವಾಗುವದಿಲ್ಲ. ೫೧ ಕೇಳಿರಿ.
ಇದುವರೆಗೆ ಗುಪ್ತವಾಗಿದ್ದ ಸಂಗತಿಯನ್ನು ನಿಮಗೆ ತಿಳಿಸುತ್ತೇನೆ. ನಾವೆಲ್ಲರೂ ನಿದ್ರೆ
ಹೋಗುವದಿಲ್ಲ. ೫೨ ಆದರೆ ಕಡೇ ತುತೂರಿಯ ದ್ವನಿಯಾಗುವಾಗ ನಾವೆಲ್ಲರೂ ಒಂದು ಕ್ಷಣದಲ್ಲೇ
ರೆಪ್ಪೆಬಡಿಯುವಷ್ಟರೊಳಗಾಗಿ ಮಾರ್ಪಡುವೆವು. ತುತೂರಿಯು ಊದಲಾಗಿ ಸತ್ತವರು
ನಿರ್ಲಯರಾಗಿ ಎಬ್ಬಿಸಲ್ಪಡುವರು. ನಾವು ಮಾರ್ಪಡುವೆವು. ೫೩ ಲಯವಾಗುವ ಈ ದೇಹವು
ನಿರ್ಲಯತ್ವವನ್ನು ಧರಿಸಿಕೊಳ್ಳುವದೂ ಮರಣಾಧಿನವಾಗಿರುವ ಈ ದೇಹವು ಅಮರತ್ವವನ್ನು
ಧರಿಸಿಕೊಳ್ಳುವದೂ ಅವಶ್ಯ. ೫೪ ಲಯವಾಗುವ ಈ ದೇಹವು ನಿರ್ಲಯತ್ವವನ್ನು ಧರಿಸಿಕೊಂಡಾಗ
ಮರಣಾಧೀನವಾಗಿರುವ ಈ ದೇಹವು ಅಮರತ್ವವನ್ನು ಧರಿಸಿಕೊಂಡಾಗ ಬರೆದಿರುವ ಮಾತು
ನೆರವೇರುವದು.ಆ ಮಾತು ಏನೆಂದರೆ- ಮರಣವು ನುಂಗಿಯೇ ಹೋಯಿತು. ಜಯವಾಯಿತು

ಎಂಬದೇ. ೫೫ ಮರಣವೇ ನಿನ್ನ ಜಯವೆಲ್ಲಿ? ಮರಣವೇ ನಿನ್ನ ವಿಷದ ಕೊಂಡಿ ಎಲ್ಲಿ ?
೫೬ ಮರಣದ ಕೊಂಡಿ ಪಾಪವೇ ಮತ್ತು ಪಾಪದ ಬಲಕ್ಕೆ ಆಧಾರವು ಧರ್ಮಶಾಸ್ತ್ರವೇ. ೫೭ ಆದರೆ
ದೇವರು ನಮ್ಮ ಕರ್ತನಾದ ಯೇಸು ಕ್ರಿಸ್ತನ ಮೂಲಕ ನಮಗೆ ಜಯವನ್ನು ಕೊಟ್ಟಿದ್ದಾನೆ. ಆತನಿಗೆ
ಸ್ತ್ರೋತ್ರ . ೫೮ ಆದದರಿಂದ ನನ್ನ ಪ್ರಿಯ ಸಹೋದರರೇ ಸ್ಥಿರಚಿತ್ತರಾಗಿಯೂ ನಿಶ್ಚಲರಾಗಿಯೂ
ಇರ್ರಿ ನೀವು ಕರ್ತನ ಸೇವೆಯಲ್ಲಿ ಪಡುವ ಪ್ರಯಾಸವು ನಿಷ್ಪಲವಾಗುವದಿಲ್ಲವೆಂದು ತಿಳಿದು
ಕರ್ತನ ಕೆಲಸವನ್ನು ಯಾವಾಗಲೂ ಅತ್ಯಾಸಕ್ತಿಯಿಂದ ಮಾಡುವವರಾಗಿರಿ.

### ಯೆರೂಸಲೇಮಿನಲ್ಲಿದ್ದ ಬಡಕ್ರೈಸ್ತರಿಗೋಸ್ಕರ ಧರ್ಮದ ಹಣ ಕೂಡಿಸುವದನ್ನು ಕುರಿತದ್ದು.

೧೬ ೧ ದೇವಜನರಿಗೋಸ್ಕರ ಹಣ ವಸೂಲಿಮಾಡುವದನ್ನು ಕುರಿತು ನಾಣು
ಹೇಳುವದೇನಂದರೆ ಗಲಾತ್ಯದ ಸಭೆಗಳಿಗೆ ನಾನು ಹೇಳಿಕೊಟ್ಟ ಕ್ರಮದಂತೆ ನೀವೂ
ಮಾಡಿರಿ. ೨ ನಾಣು ಬಂದಾಗ ಹಣ ಹಣವಸೂಲಿಮಾಡಬೇಕಾದ ಅವಶ್ಯವಾಗದಂತೆ ನಿಮ್ಮಲ್ಲಿ
ಪ್ರತಿಯೊಬ್ಬನು ತನಗೆ ಬಂದ ಸಂಪಾದನೆಯ ಮೇರೆಗೆ ವಾರ ವಾರದ ಮೊದಲನೇಯ ದಿನದಲ್ಲಿ
ಗಂಟುಮಾಡಿ ತನ್ನ ಮನೆಯಲ್ಲಿಟ್ಟುಕೊಂಡಿರಬೇಕು. ೩ ನಾಣು ಬಂದ ಮೇಲೆ ನೀವು ಯಾರನ್ನು
ಯೋಗ್ಯರೆಂದು ಸೂಚಿಸುವಿರೋ ಅವರನ್ನು ಯೆರೂಸಲೇಮಿಗೆ ನಿಮ್ಮ ಉಪಕಾರದ್ರವ್ಯವನ್ನು
ತೆಗೆದುಕೊಂಡು ಹೋಗುವದಕ್ಕೆ ಪತ್ರಗಳನ್ನು ಕೊಟ್ಟು ಕಳುಹಿಸುವೆನು. ೪ ನಾನು ಸಹ
ಹೋಗುವದು ಯುಕ್ತವಾಗಿ ತೋರಿದರೆ ಅವರು ನನ್ನ ಜೊತೆಯಲ್ಲಿ ಬರಬಹುದು. ೫ ನಾನು
ಹಾದುಹೋಗಬೇಕೆಂದಿರುವ ಮೆಕೆದೋನ್ಯ ಸೀಮೆಯನ್ನು ದಾಟಿದ ಮೇಲೆ ನಿಮ್ಮ ಬಳಿಗೆ
ಬಂದು ನಿಮ್ಮ ಬಳಿಯಲ್ಲಿ ಇಳುಕೊಳ್ಳುವೆನು ೬ ನಿಮ್ಮಲ್ಲಿ ಹಿಮಕಲವನ್ನಾದರೂ ಕಳೆದೇನು?
ಮತ್ತು ನಾನು ಹೋಗಬೇಕಾದ ಸ್ಥಳಕ್ಕೆ ನೀವು ನನ್ನನ್ನು ಸಾಗಕಳುಹಿಸಬೇಕು. ೭ ಈ ಸಮಯದಲ್ಲಿ
ಹೋಗಹೋಗುತ್ತಾ ನಿಮ್ಮನ್ನು ನೋಡುವದಕ್ಕೆ ನನಗೆ ಇಷ್ಟವಿಲ್ಲ. ಕರ್ತನ ಅಪ್ಪಣೆಯಾದರೆ ನಿಮ್ಮ
ಬಳಿಯಲ್ಲಿ ಕೆಲವು ಕಾಲ ಇರುವೆನೆಂದು ನಿರೀಕ್ಷಿಸುತ್ತೇನೆ. ೮ ಪಂಚಾಶತ್ತಮ ದಿನದ ಹಬ್ಬದ ತನಕ
ಎಫೆಸದಲ್ಲಿರುವೆನು. ೯ ಯಾಕಂದರೆ ಕಾರ್ಯಕ್ಕೆ ಅನುಕೂಲವಾದ ಮಹಾ ಸಂದರ್ಭವು ನನಗುಂಟು.
ಮತ್ತು ವಿರೋಧಿಗಳು ಬಹಳ ಮಂದಿ ಇದ್ದಾರೆ.

### ವಂದನೆಗಳೂ ಆಶೀರ್ವಚನವೂ

೧೦ ತಿಮೋಥೆಯನು ಬಂದರೆ ಅವನು ನಿಮ್ಮ ಬಳಿಯಲ್ಲಿ ಭಯವಿಲ್ಲದೆ ಇರುವಂತರ
ನೋಡಿಕೊಳ್ಳಿರಿ.ನನಶನ ಹಾಗೆಯೆ ಕರ್ತನ ಕೆಲಸವನ್ನು ನಡಿಸುತ್ತಾನೆ. ೧೧ ಆದದರಿಂದ ಯಾರೂ
ಅವನನ್ನು ಹೀನೈಸಬಾರದು. ಮತ್ತು ಅವನು ನನ್ನ ಬಳಿಗೆ ಬರುವಂತೆ ಅವನನ್ನು ಸಮಾದಾನದಿಂದ
ಸಾಗಕಳುಹಿಸಿರಿ. ಅವನು ಡಹೋದರರೊಂದಗೆ ಬರುವದನ್ನು ಎದುರುನೋಡುತ್ತಾ ಇದ್ದೆನೆ.
೧೨ ಸಹೋದರನಾದ ಅಪೊಲ್ಲೋಸನ ಸಂಗತಿ ಯೇನಂದರೆ ಸಹೋದರರೊಂದಿಗೆ ನಿಮ್ಮ
ಬಳಿಗೆ ಹೋಗಬೇಕೆಂದು ಅವನನ್ನು ಬಹಳವಾಗಿ ಬೇಡಿಕೊಂಡೆನು. ಈಗ ಬರುವದಕ್ಕೆ ಅವನಿಗೆ
ಸ್ವಲ್ಪವೂ ಮನಸ್ಸಿರಲಿಲ್ಲ. ಒಳ್ಳೆ ಸಮಯ ಸಿಕ್ಕಿದಾಗ ಬರುವನು.
೧೩ ಎಚ್ಚರವಾಗಿರಿ ಕ್ರಿಸ್ತನಂಬಿಕೆಯಲ್ಲಿ ದೃಡವಾಗಿ ನಿಲ್ಲಿರಿ. ಶೂರರಾಗಿರಿ. ಬಲಗೊಳ್ಳಿರಿ.
೧೪ ನೀವು ಮಾಡುವದನ್ನೆಲ್ಲಾ ಪ್ರೀತಿಯಿಂದ ಮಾಡಿರಿ. ೧೫ ಸ್ತೆಫನನ ಮನೆಯವರು
ಅಖಾಯದಲ್ಲಿನ ಪ್ರಥಮಫಲವೆಂದು ಅವರು ದೇವಜನರಿಗೆ ಸೇವೆಮಾಡುವದಕ್ಕಾಗಿ
ಕೈಹಾಕಿದರೆಂದು ನೀವು ಬಲ್ಲಿರಷ್ಟೆ. ೧೬ ಸಹೋದರರೇ, ನೀವು ಇಂಥವರಿಗೂ ಸಹಾಯಮಾಡುತ್ತಾ
ಪ್ರಯಾಸಪಡುತ್ತಾ ಇರುವವರೆಲ್ಲರಿಗೂ ಒಳಗಾಗಬೇಕೆಂದು ನಿಮ್ಮನ್ನು ಬೇಡಿಕೊಳ್ಳುತ್ತೇನೆ.
೧೭ ಸ್ತೆಫನನೂ ಫೊರ್ತುನಾತನೂ ಅಖಾಯಿಕನೂ ಬಂದದರಿಂದ ನನಗೆ ಸಂತೋಷವಾಯಿತು.
ನೀವು ಇಲ್ಲದಿದ್ದರಿಂದ ನನಗುಂಟಾದ ಕೊರತೆಯನ್ನು ಅವರು ನೀಗಿದರು. ೧೮ ಅವರು ನನ್ನ
ಆತ್ಮವನ್ನೂ ನಿಮ್ಮ ಆತ್ಮಗಳನ್ನೂ ಉಪಶಮನ ಮಾಡಿದರು. ಇಂಥವರನ್ನು ಸನ್ಮಾನಿಸಿರಿ.
೧೯ ಆಸ್ಯಸೀಮೆಯ ಸಭೆಗಳವರು ನಿಮಗೆ ವಂದನೆ ಹೇಳುತ್ತಾರೆ. ಅಕ್ವಿಲನೂ ಪ್ರಿಸ್ಕಳೂ ತಮ್ಮ
ಮನೆಯಲ್ಲಿ ಕೂಡುವ ಸಭೆಯವರೊಂದಿಗೆ ಕರ್ತನ ಹೆಸರಿನಲ್ಲಿ ಅನೇಕ ವಂದನೆಗಳನ್ನು
ಹೇಳುತ್ತಾರೆ. ೨೦ ಸಹೋದರರೆಲ್ಲರೂ ನಿಮ್ಮನ್ನು ವಂದಿಸುತ್ತಾರೆ ಪವಿತ್ರವಾದ ಮುದ್ದಿಟ್ಟು
ಒಬ್ಬರನ್ನೊಬ್ಬರು ವಂದಿಸಿರಿ. ೨೧ ಪೌಲನೆಂಬ ನಾನು ಸ್ವಂತ ಕೈಯಿಂದ ವಂದನೆಯನ್ನು
ಬರೆದಿದ್ದೇನೆ. ೨೨ ಯಾವನಾದರೂ ಕರ್ತನನ್ನು ಪ್ರೀತಿಸದಿದ್ದರೆ ಅವನು ಶಾಪಗ್ರಸ್ತನಾಗಲಿ. ಕರ್ತನು

ಬರುತ್ತಾನೆ. [೨೩] ಕರ್ತನಾದ ಯೇಸು ಕ್ರಿಸ್ತನ ಕೃಪೆಯು ನಿಮ್ಮೊಂದಿಗಿರಲಿ [೨೪] ಕ್ರಿಸ್ತ ಯೇಸುವಿನಲ್ಲಿ
ನಿಮ್ಮೆಲ್ಲರ ಮೇಲೆ ನನ್ನ ಪ್ರೀತಿ.

# ಪೌಲನು ಕೊರಿಂಥದವರಿಗೆ ಬರೆದ ಎರಡನೆಯ ಪತ್ರಿಕೆ

## ಒಕ್ಕಣೆ

೧ ೧ ದೇವರ ಚಿತ್ತಾನುಸಾರ ಕ್ರಿಸ್ತ ಯೇಸುವಿನ ಅಪೊಸ್ತಲನಾದ ಪೌಲನು ಸಹೋದರನಾದ
ತಿಮೊಥೆಯನೂ ಕೊರಿಂಥದಲ್ಲಿರುವ ದೇವಸಭೆಯವರಿಗೂ ಅಖಾಯ ಸೀಮೆಯಲ್ಲೆಲ್ಲಾ
ಇರುವ ದೇವಜನರೆಲ್ಲರಿಗೂ ಬರೆಯುವದೇನಂದರೆ, ೨ ನಮ್ಮ ತಂದೆಯಾದ ದೇವರಿಂದಲೂ
ಕರ್ತನಾದ ಯೇಸುಕ್ರಿಸ್ತನಿಂದಲೂ ನಿಮಗೆ ಕೃಪೆಯು ಶಾಂತಿಯು ಆಗಲಿ.

## ಪೌಲನ ಕಡೆಗೆ ಉಂಟಾದ ಆಧರಣೆಯಿಂದ ಅನೇಕರಿಗೆ ಉಪಯೋಗ ಉಂಟಾಗುವದೆಂದು ಹೇಳಿದ್ದು.

೩ ನಮ್ಮ ಕರ್ತನಾದ ಯೇಸು ಕ್ರಿಸ್ತನು ದೇವರೂ ತಂದೆಯೂ ಆಗಿರುವಾತನಿಗೆ ಸ್ತೋತ್ರವಾಗಲಿ.
ಆತನು ಕನಿಕರವುಳ್ಳ ತಂದೆಯು ಸಕಲ ವಿಧವಾಗಿ ಸಂತೈಸುವ ದೇವರೂ ಆಗಿದ್ದು, ೪ ನಮಗೆ
ಸಂಭವಿಸುವ ಎಲ್ಲಾ ಸಂಕಟಗಳಲ್ಲಿ ನಮ್ಮನ್ನು ಸಂತೈಸುತ್ತಾನೆ. ಹೀಗೆ ದೇವರಿಂದ ನಮಗಾಗುವ
ಆಧರಣೆಯ ಮೂಲಕ ನಾವು ನಾನಾ ವಿಧವಾದ ಸಂಕಟಗಳಲ್ಲಿ ಬಿದ್ದಿರುವವರನ್ನು ಸಂತೈಸುವದಕ್ಕೆ
ಶಕ್ತರಾಗುತ್ತೇವೆ. ೫ ಯಾಕಂದರೆ ಕ್ರಿಸ್ತನು ನಿಮಿತ್ತ ನಮಗೆ ಬಾಧೆಗಳು ಹೇಗೆ ಹೇರಳವಾಗಿ
ಉಂಟಾಗುತ್ತವೆಯೋ ಹಾಗೆಯೇ ಆಧರಣೆಯೂ ಕೂಡ ಕ್ರಿಸ್ತನ ಮೂಲಕ ಹೇರಳವಾಗಿ
ಉಂಟಾಗುತ್ತವೆ. ೬ ನಮಗೆ ಸಂಕಟ ಬರುತ್ತದೋ ಅದರಿಂದ ನಿಮಗೆ ಧೈರ್ಯವೂ ರಕ್ಷಣೆಯೂ
ಉಂಟಾಗುತ್ತದೆ. ನಮಗೆ ಸಂಕಟ ಪರಿಹಾರವಾಗುತ್ತದೋ ಅದರಿಂದ ನಿಮಗೆ ಆಧರಣೆ ಆಗುತ್ತದೆ.
ನಾವು ಅನುಭವಿಸುವಂಥ ಬಾಧೆಗಳನ್ನು ನೀವು ತಾಳ್ಮೆಯಿಂದ ಸಹಿಸಿಕೊಳ್ಳುವಂತೆ ಅದು
ನಿಮ್ಮನ್ನು ಧೈರ್ಯಗೊಳಿಸುತ್ತದೆ. ೭ ನೀವು ಭಾಧೆಗಳಲ್ಲಿ ನಮಗೊಂದಿಗೆ ಪಾಲುಗಾರರಾಗಿರುವ
ಪ್ರಕಾರ ಆಧರಣೆಯಲ್ಲಿಯೂ ಪಾಲುಗಾರರಾಗಿದ್ದೀರೆಂದು ತಿಳಿದಿರುವದರಿಂದ ನಿಮ್ಮ
ವಿಷಯದಲ್ಲಿ ನಮಗಿರುವ ನಿರೀಕ್ಷೆಯು ದೃಢವಾಗಿದೆ. ೮ ಸಹೋದರರೇ ಅಸ್ಯ
ಸೀಮೆಯಲ್ಲಿ ನಮಗೆ ಸಂಭವಿಸಿದ ಸಂಕಟವನ್ನು ಕುರಿತು ವಿಚಾರಿಸುತ್ತಿದ್ದೀರೋ
ಅದರಲ್ಲಿ ನಾವು ಬಲವನ್ನು ಮೀರಿದಂಥ ಅತ್ಯಧಿಕವಾದ ಬಾರದಿಂದ ಕುಗ್ಗಿಹೋಗಿ ಜೀವ
ಉಳಿಸುವ ಮಾರ್ಗವನ್ನು ಕಾಣದವರಾಗಿದ್ದೇವೆಣಮದನ್ನು ನೀವು ತಿಳಿಯಬೇಕೆಂದು
ಅಪೇಕ್ಷಿಸುತ್ತೇನೆ. ೯ ಮರಣವಾಗುತ್ತದೆಂಬ ನಿಶ್ಚಯವು ನಮ್ಮಲ್ಲಿ ಉಂಟಾಯಿತು. ನಾವು
ನಮ್ಮ ಮೇಲೆ ಭರವಸವನ್ನಿಟ್ಟುಕೊಳ್ಳದೆ ಸತ್ತವರನ್ನು ಎಬ್ಬಿಸುವ ದೇವರ ಮೇಲೆಯೂ
ಭರವಸವಿಡುವವರಾಗಬೇಕೆಂದು ಹೀಗಾಯಿತು. ೧೦-೧೧ ಆತನು ನಮ್ಮನ್ನು ಎಂಥಾ ಭಯಂಕರ
ಮರಣದಿಂದ ತಪ್ಪಿಸಿದನು. ಮುಂದೆಯೂ ತಪ್ಪಿಸುವನು. ನೀವು ನಮಗೋಸ್ಕರ ಪ್ರಾರ್ಥನೆ
ಮಾಡುವವರಾಗಿ ಸಹಗಳಾಗಿರುವದರಿಂದ ಆತನು ಇನ್ನು ಮೇಲೆಯೂ ತಪ್ಪಿಸುವನೆಂದು ಆತನಲ್ಲಿ
ನಿರೀಕ್ಷೆ ಯಿಟ್ಟವರಾಗಿದ್ದೇವೆ. ಹೀಗೆ ಅನೇಕರ ವಿಜ್ಞಾಪನೆಗಳಿಂದ ನಮಗೆ ದೊರಕುವ
ಉಪಕಾರಕ್ಕಾಗಿ ನಮ್ಮ ನಿಮಿತ್ತ ಅನೇಕರಿಂದ ದೇವರಿಗೆ ಕೃತಜ್ಞತಾಸ್ತುತಿ ಉಂಟಾಗುವದು.
೧೨ ನಾವು ಕೇವಲ ಮನುಷ್ಯ ಜ್ಞಾನವನ್ನು ಬಳಸದೇ ದೇವರ ಕೃಪೆಯನ್ನು ಆಶ್ರಯಿಸಿ ಆತನಿಂದಾಗುವ
ಪವಿತ್ರತ್ವವೂ ನಿಷ್ಕಪಟತ್ವವೂ ಉಳ್ಳವರಾಗಿ ಈ ಲೋಕದಲ್ಲಿ ಮುಖ್ಯವಾಗಿ ನಿಮ್ಮ ವಿಷಯದಲ್ಲಿ
ನಡಕೊಂಡೆವೆಂದು ನಮ್ಮ ಮನಸ್ಸು ನಮಗೆ ಸಾಕ್ಷಿ ಹೇಳುತ್ತದೆ. ಇದೇ ನಮಗಿರುವ ಉಲ್ಲಾಸ
೧೩ ನೀವು ನಮ್ಮ ಪತ್ರಿಕೆಗಳಲ್ಲಿ ಓದಿ ಒಪ್ಪಿಕೊಂಡ ಸಂಗತಿಗಳನ್ನೇ ಅಲ್ಲದೆ ಬೇರೆ ಯಾವದನ್ನು
ನಾವು ನಿಮಗೆ ಬರೆಯಲಿಲ್ಲ. ೧೪ ನಾವು ನಿಮಗೆ ಉಲ್ಲಾಸ ಕಾರಣರಾಗಿದ್ದೇವೆಂಬದನ್ನು ನೀವು
ಸ್ವಲ್ಪ ಮಟ್ಟಿಗೆ ಒಪ್ಪಿಕೊಂಡಂಥಯೇ ಕಡೇ ತನಕ ಒಪ್ಪಿಕೊಳ್ಳುವಿರೆಂದು ನಿರೀಕ್ಷಿಸುತ್ತೇನೆ.
ಹಾಗೆಯೇ ನೀವೂ ನಮ್ಮ ಕರ್ತನಾದ ಯೇಸುವಿನ ಪ್ರತ್ಯಕ್ಷತೆಯಲ್ಲಿ ನಮಗೆ ಉಲ್ಲಾಸ
ಕಾರಣರಾಗುವಿರಿ ಎಂದು ನಿರೀಕ್ಷಿಸುತ್ತೇನೆ.

### ಪೌಲನು ತಾನು ಕೊರಿಂಥ ಪಟ್ಟಣಕ್ಕೆ ಬಾರದಿದ್ದದ್ದಕ್ಕೆ ಕಾರಣವನ್ನು ತಿಳಿಸಿ ಅಲ್ಲಿನ ಸಭೆಯವರು ಬಹಿಷ್ಕಾರ ಹೊಂದಿದವನನ್ನು ತಿರಿಗಿ ಸೇರಿಸಿಕೊಳ್ಳಬೇಕೆಂದು ಬುದ್ಧಿಹೇಳಿದ್ದು.

೧೫ ನಾನು ಇಂಥಾ ಭರವಸವುಳ್ಳವನಾಗಿದ್ದು ನಿಮಗೆ ಎರಡು ಸಾರಿ ನಮ್ಮ ಮೂಲಕ ಕೃಪಾವರ
ಉಂಟಾಗಬೇಕೆಂದು ಯೋಚಿಸಿದ್ದೆನು. ೧೬ ಮೊದಲು ನಿಮ್ಮ ಬಳಿಗೆ ಬಂದು ನಿಮ್ಮ
ಮಾರ್ಗವಾಗಿ ಮಕೆದೋನ್ಯಕ್ಕೆ ಹೋಗಿ ಆ ಮೇಲೆ ಮಕೆಓನ್ಯವನ್ನು ಬಿಟ್ಟು ತಿರಿಗಿ ನಿಮ್ಮ
ಬಳಿಗೆ ಬಂದು ನಿಮ್ಮಿಂದ ಯೋದಾಯಕ್ಕೆ ಸಾಗಕಳುಹಿಸಲ್ಪಡಬೇಕೆಂದು ಯೋಚಿಸಿದ್ದೆನು.
೧೭ ಇದನ್ನು ಯೋಚಿಸಿದಾಗ ಚಪಲಚಿತ್ತನಾಗಿದ್ದೆವೋ? ನಾನು ಯೋಚಿಸುವದನ್ನು
ಕೇವಲ ಮನುಷ್ಯ ಬುದ್ಧಿಯಿಂದ ಯೋಚಿಸಿ ಹೌದು ಹೌದು ಅಂದ ಮೇಲೆ ಅಲ್ಲ ಅಲ್ಲ
ಅನ್ನುವವನಾಗಿದ್ದೇವೋ? ೧೮ ನಂಬಿಗಸ್ತನಾಗಿರುವ ದೇವರಾಣೆ ನಾವು ನಿಮಗೆ ಹೇಳುವ ಮಾತು
ಒಂದು ಸಾರಿ ಹೌದೆಂದು ಒಂದು ಸಾರಿ ಅಲ್ಲವೆಂದು ಇರುವದಿಲ್ಲ. ೧೯ ನಾವು ಅಂದರೆ ನಾನೂ
ಸಿಲ್ವಾನನೂ ತಿಮೋಥೆಯನೂ ನಿಮ್ಮಲ್ಲಿ ಪ್ರಸಿದ್ಧಿ ಪಡಿಸಿದ ದೇವರ ಮಗನಾದ ಯೇಸು
ಕ್ರಿಸ್ತನು ಹೌದೆಂತಲೂ ಅಲ್ಲವೆಂತಲೂ ಎರಡು ಪ್ರಕಾರವಾಗಿರಲಿಲ್ಲ. ಆತನಲ್ಲಿ ಹೌದೆಂಬುದೇ
ನೆಲೆಗೊಂಡಿದೆ. ೨೦ ನಿಶ್ಚಯವಾಗಿ ದೇವರ ವಾಗ್ದಾನಗಳು ಎಷ್ಟಿದ್ದರೂ ಕ್ರಿಸ್ತನಲ್ಲೇ ದೃಢವಾಗುತ್ತವೆ.
ಆದಕಾರಣ ದೇವರು ಪ್ರಭಾವವು ಪ್ರಕಾಶವೆಗುವದಕ್ಕೋಸ್ಕರ ಆತನ ಮೂಲಕವಾಗಿ ನಾವು ಆಮೆನ
ಎಂದು ಹೇಳುತ್ತೇವೆ. ೨೧ ನಮ್ಮನ್ನು ಅಭಷೇಕಿಸಿ ಕ್ರಿಸ್ತನ ಅನ್ಯೋನ್ಯತೆಯಲ್ಲಿ ಸೇರಿಸಿ ನಮ್ಮನ್ನು
ನಿಮ್ಮೊಂದಿಗೆ ಸ್ಥಿರಪಡಿಸುವವನು ದೇವರೇ. ೨೨ ಆತನು ನಮ್ಮ ಮೇಲೆ ಮುದ್ರೆ ಹಾಕಿ ನಮ್ಮ
ಹೃದಯಗಳಲ್ಲಿ ಪವಿತ್ರಾತ್ಮನನ್ನು ಸಂಚಕಾರವಾಗಿ ಅನುಗ್ರಹಿಸಿದ್ದಾನೆ.

೨೩ ನಿಮ್ಮ ಮೇಲೆ ಕನಿಕರವಿದ್ದದ್ದರಿಂದಲೇ ನಾನು ಕೊರಿಂಥಕ್ಕೆ ಬರಬೇಕೆಂದು
ಅಭಿಪ್ರಾಯವನ್ನು ಬಿಟ್ಟು ಬಿಟ್ಟಿದ್ದೇನೆಂದು ನನ್ನ ಜೀವದಾಣೆ ಹೇಳುತ್ತೇನೆ. ಅದಕ್ಕೆ
ದೇವರೇ ಸಾಕ್ಷಿಯಗಿರಲಿ. ೨೪ ನಾವು ನಂಬಿಕೆಯ ವಿಷಯದಲ್ಲಿಯೂ ನಿಮ್ಮ ಮೇಲೆ
ದೊರೆತನಮಾಡುವವರೆಂದು ನನ್ನ ತಾತ್ಪರ್ಯವಲ್ಲ. ನಿಮ್ಮ ಸಂತೋಷಕ್ಕೆ ನಾವು
ಸಹಾಯಕರಾಗಿದ್ದೇವೆ. ನಂಬಿಕೆಯ ವಿಷಯದಲ್ಲಿ ದೃಢನಿಂತಿದ್ದೀರಿ.

೨ ೧ ಆದರೆ ನಾನು ತಿರಿಗಿ ನಿಮ್ಮಬಳಿಗೆ ದುಃಖದಿಂದ ಬರುವದಿಲ್ಲವೆಂದು ನನ್ನಲ್ಲಿ
ತೀರ್ಮಾನಿಸಿಕೊಂಡಿದ್ದೇನೆ. ೨ ನಾನು ನಿಮ್ಮನ್ನು ದುಃಖ ಪಡಿಸಿದರೆ ನನ್ನನ್ನು
ಆನಂದಪಡಿಸುವದಕ್ಕೆ ಯಾರಿದ್ದಾರೆ? ನನ್ನಿಂದ ದುಃಖಹೊಂದಿದವರೇ ಹೊರತು ಬೇರೆ
ಯಾರೂ ಇಲ್ಲವಲ್ಲಾ. ೩ ಆದಕಾರಣ ನಾನು ಬಂದಾಗ ನನ್ನನ್ನು ಸಂತೋಷಪಡಿಸತಕ್ಕವರಿಂದ ದುಃಖ
ಹೊಂದಬಾರದೆಂದು ಯೋಚಿಸಿ ಆ ಸಂಗತಿಗಳನ್ನು ಪತ್ರಿಕೆಯ ಮೂಲಕವೇ ತಿಳಿಸಿದೆನು.
ನನ್ನ ಸಂತೋಷವೇ ನಿಮ್ಮೆಲ್ಲರ ಸಂತೋಷವೇ ಎಂದು ತಿಳಿದು ನಿಮ್ಮೆಲ್ಲರ ವಿಷಯದಲ್ಲೂ
ನನಗೆ ಭರವಸವಿತ್ತು. ೪ ನಿಮಗೆ ದುಃಖವಾಗಬೇಕಂತಲ್ಲ. ನಿಮ್ಮ ಮೇಲೆ ನನಗಿರುವ ಅಧಿಕವಾದ
ಪ್ರೀತಿಯನ್ನು ನೀವು ತಿಳುಕೊಳ್ಳಬೇಕೆಂತಲೇ ನಾನು ಬಹಳ ಕಣ್ಣೀರು ಬಿಡುತ್ತಾ ಹೃದಯದ ಬಹು
ಸಂಕಟದಿಂದಲೂ ವ್ಯಾಕುಲದಿಂದಲೂ ನಿಮಗೆ ಬರೆದೆನು.

೫ ದುಃಖವನ್ನು ಉಂಟುಮಾಡಿರುವವನೊಬ್ಬನು ನಿಮ್ಮಲ್ಲಿ ಇದ್ದರೂ ಅವನು ನನ್ನನ್ನು ಮಾತ್ರ
ದುಃಖ ಪಡಿಸದೆ ನಿಮ್ಮಲ್ಲಿ ಬಹುಜನರನ್ನೂ ದುಃಖಪಡಿಸಿದ್ದಾನೆ. ಆ ದುಃಖವು ಎಲ್ಲರಲ್ಲಿಯೂ
ಉಂಟಾಯಿತೆಂದು ನಾನು ಹೇಳುವದಿಲ್ಲ. ೬ ಇಂಥವನಿಗೆ ನಿಮ್ಮಲ್ಲಿ ಹೆಚ್ಚಾದ ಜನರಿಂದುಂಟಾದ
ಆ ಶಿಕ್ಷೆಯೇ ಸಾಕು. ೭ ಇನ್ನು ಅವನನ್ನು ಶಿಕ್ಷಿಸದೇ ಮನ್ನಿಸಿರಿ. ಸಂತೈಸಿರಿ. ಇಲ್ಲವಾದರೆ ಅವನು
ಅಧಿಕವಾದ ದುಃಖದಲ್ಲಿ ಮುಳುಗಿ ಹೋದಾನು ೮ ಆದದರಿಂದ ಅವನಿಗೆ ನಿಮ್ಮ ಪ್ರೀತಿಯನ್ನು
ನಿಶ್ಚಯಪಡಿಸಬೇಕೆಂದು ನಿಮ್ಮನ್ನು ಬೇಡಿಕೊಳ್ಳುತ್ತೇನೆ. ೯ ಸರ್ವವಿಷಯದಲ್ಲೂ ನೀವು
ವಿಧೇಯರಾಗಿದ್ದೀರೋ ಏನೋ ನಿಮ್ಮ ಗುಣವನ್ನು ಪರೀಕ್ಷಿಸಿ ತಿಳುಕೊಳ್ಳಬೇಕೆಂಬುವ
ಉದ್ದೇಶದಿಂದಲೇ ಮೊದಲು ಬರೆದೆನು. ೧೦ ನೀವು ಯಾರಿಗೆ ಯಾವದನ್ನು ಮನ್ಇಸುತ್ತೀರೋ
ನಾನೂ ಸಹ ಮನ್ನಿಸುತ್ತೇನೆ. ನಾನು ಯಾವದನ್ನಾದರೂ ಮನ್ನಿಸಿದ್ದರೆ ಕ್ರಿಸ್ತನ ಸನ್ನಿಧಾನದಲ್ಲಿ
ನಿಮ್ಮ ನಿಮಿತ್ತವೇ ಮನ್ನಿಸಿದೆನು. ೧೧ ಸೈತಾನನು ನಮ್ಮನ್ನು ವಂಚಿಸಿ ನಷ್ಟಪಡಿಸಬಾರದು ಅವನ
ಯೋಚನೆಗಳನ್ನು ನಾವು ಅರಿಯದವರಲ್ಲವಲ್ಲ.

### ಸುವಾರ್ತಾ ಸೇವೆಯ ಶ್ರೇಷ್ಠತೆಯನ್ನು ಕುರಿತದ್ದು.

೧೨ ಕ್ರಿಸ್ತನ ಸುವಾರ್ತೆಯನ್ನು ಸಾರುವದಕ್ಕಾಗಿ ನಾನು ತ್ರೋವಕ್ಕೆ ಬರಲು ಕರ್ತನ ಕೃಪೆಯಿಂದ
ನನಗೆ ಒಳ್ಳೆ ಸಂದರ್ಭ ಉಂಟಾಯಿತು. ೧೩ ಆದರೂ ನನ್ನ ಸಹೋದರನಾದ ತೀತನು ನನಗೆ
ಸಿಕ್ಕಲಿಲ್ಲವಾದ ಕಾರಣ ನನ್ನ ಆತ್ಮಕ್ಕೆ ಉಪಶಮನವಿಲ್ಲದೆ ಅಲ್ಲಿದ್ದವರಿಂದ ಕಳುಹಿಸಿಕೊಂಡವನಾಗಿ
ಹೊರಟು ಮಕೆದೋನ್ಯಕ್ಕೆ ಬಂದನು.

೧೪ ಕ್ರಿಸ್ತನ ಅನ್ಯೋನ್ಯತೆಯಲ್ಲಿ ನಮ್ಮನ್ನು ಯಾವಾಗಲೂ ಜಯೋತ್ಸವದೊಡನೆ ಮೆರೆಸುತ್ತಾ
ಆತನ ವಿಷಯವಾದ ಜ್ಞಾನವೆಂಬ ಸುವಾಸನೆಯನ್ನು ನಮ್ಮ ಮೂಲಕ ಎಲ್ಲಾ ಸ್ಥಳಗಳಲ್ಲಿ
ವ್ಯಾಪನಗೊಳಿಸುತ್ತಾ ಬರುವ ದೇವರಿಗೆ ಸ್ತೋತ್ರವು. ೧೫ ರಕ್ಷಣಾ ಮಾರ್ಗದಲ್ಲಿರುವವರಲ್ಲಿಯೂ
ನಾಶನಮಾರ್ಗದಲ್ಲಿರುವವರಲ್ಲಿಯೂ ನಾವು ದೇವರ ಮುಂದೆಯೂ ಕ್ರಿಸ್ತನ ಪರಿಮಳವಾಗಿದ್ದೇವೆ.
೧೬ ನಾವು ನಾಶನಮಾರ್ಗದಲ್ಲಿರುವವರಗೆ ಮರಣದಿಂದ ಹುಟ್ಟಿ ಮರಣವನ್ನು ಹುಟ್ಟಿಸುವ
ವಾಸನೆಯಾಗಿಯೂ ರಕ್ಷನಾಮಾರ್ಗದಲ್ಲಿರುವವರಿಗೆ ಜೀವದಿಂದ ಹುಟ್ಟಿ ಜೀವವನ್ನು
ಹುಟ್ಟಿಸುವ ವಾಸನೆಯಾಗಿಯೂ ಇದ್ದೇವೆ. ಇಂಥ ಕಾರ್ಯಗಳಿಗೆ ಯಾರು ಯೋಗ್ಯರು?
೧೭ ಆದರೆ ನಾವು ದೇವರ ವಾಕ್ಯವನ್ನು ಕಲಬೆರಿಕೆ ಮಾಡುವವರಾದ ಹೆಚ್ಚು ಪಾಲಿನ ಜನರ
ಹಾಗಿರದೆ ನಿಷ್ಕಪಟಿಗಳಾಗಿ ದೇವರಿಂದ ಉಪದೇಶ ಹೊಂದಿದವರಿಗೆ ತಕ್ಕ ಹಾಗೆ ಕ್ರಿಸ್ತನ
ಅನ್ಯೋನ್ಯತೆಯಲ್ಲಿದ್ದುಕೊಂಡು ದೇವರ ಸಮಕ್ಷಮದಲ್ಲಿಯೇ ಮಾತಾಡುತ್ತೇವೆ.

೩ ೧ ನಾವೇ ನಮ್ಮನ್ನು ತಿರಿಗಿ ಹೊಗಳಿಕೊಳ್ಳುವದಕ್ಕೆ ಪ್ರಾರಂಭಿಸುತ್ತೇವೋ? ಇಲ್ಲವೆ
ಕೆಲವರಿಗೆ ಬೇಕಾಗಿರುವ ಪ್ರಕಾರ ನಿಮಗೆ ತೋರಿಸತಕ್ಕ ಯೋಗ್ಯತಾ ಪತ್ರಗಳು ನಮಗೆ
ಸಗತ್ಯವೋ? ಅಥವಾ ಅಂಥ ಪತ್ರಗಳನ್ನು ನಿಮ್ಮಿಂದ ಪಡಕೊಳ್ಳಬೇಕೋ? ೨ ನೀವೇ ನಮ್ಮ
ಯೋಗ್ಯತಾ ಪತ್ರ ಅದು ನಮ್ಮ ಹೃದಯಗಳಲ್ಲೇ ಬರೆದದೆ. ಆ ಪತ್ರವನ್ನು ಎಲ್ಲರೂ ಬಲ್ಲರು.
ಎಲ್ಲರೂ ಓದುತ್ತಾರೆ. ೩ ಕ್ರಿಸ್ತನು ನಮ್ಮ ಕೈಯಿಂದ ಬರೆಸಿಕೊಟ್ಟ ಪತ್ರವಾಗಿದ್ದೀರೆಂಬದು
ಪ್ರತ್ಯಕ್ಷವಾಗಿಯೇ ಇದೆ. ಅದು ಮಸಿಯಿಂದ ಬರೆದದ್ದಲ್ಲ. ಜೀವವುಳ್ಳ ದೇವರ ಆತ್ಮನಿಂದಲೇ
ಬರೆದದ್ದು. ಕಲ್ಲಿನ ಮೇಲೆ ಅಲ್ಲ. ಮನುಷ್ಯ ಹೃದಯಗಳೆಂಬ ಹಲಿಗೆಗಳ ಮೇಲೆ
ಬರೆದದ್ದು. ೪ ಇಂಥ ಭರವಸವು ಕ್ರಿಸ್ತನ ಮೂಲಕವೇ ದೇವರ ಮುಂದೆ ನಮಗುಂಟು.
೫ ನಮ್ಮಿಂದಲೇ ಏನಾದರು ಉಂಟಾಯಿತೆಂದು ತೀರ್ಮಾನಿಸಿಕೊಳ್ಳುವದಕ್ಕೆ ನಮ್ಮಿಷ್ಟಕ್ಕೆ
ನಾವೇ ಸಮರ್ಥರೆಂತಲ್ಲ ನಮಗಿರುವ ಸಾಮರ್ಥ್ಯವು ದೇವರಿಂದಲೇ ಬಂದದ್ದು. ೬ ಆತನು
ಹೊಸ ಒಡಂಬಡಿಕೆಗೆ ಸೇವಕರಾಗಿರುವ ಸಾಮರ್ಥ್ಯವನ್ನು ನಮಗೆ ಅನುಗ್ರಹಿಸಿದ್ದನೆ. ಈ
ಒಡಂಬಡಿಕೆಯು ಲಿಖಿತರೂಪವಾದದ್ದಾಗಿರದೆ ದೇವರಾತ್ಮ ಸಂಭಂದವಾದದ್ದು ಆಗಿದೆ. ಲಿಖಿತ
ರೂಪವಾದ ಒಡಂಬಡಿಕೆಯು ಮರಣವನ್ನುಂಟು ಮಾಡುತ್ತದೆ. ದೇವರಾತ್ಮ ಸಂಭಂದವಾದ್ದು
ಜೀವವನ್ನುಂಟುಮಾಡುತ್ತದೆ. ೭ ಮರಣ ವಿಧಿಸುವ ನಿಯಮದ ಸೇವೆಯು ಕಲ್ಲಿನ ಮೇಲೆ
ಲಿಖಿತವಾದ ಅಕ್ಷರಗಳಲ್ಲಿ ಆದಾರಗೊಂಡಿದ್ದರೂ ಪ್ರಭಾವದಿಂದ ಕೂಡಿದ್ದಾಗಿತ್ತು. ಆ
ಪ್ರಭಾವದಿಂದ ಮೋಶೆಯ ಮುಖಕ್ಕೆ ಬಂದ ಪ್ರಕಾಶವು ದಿಹೋಗುವಂಥಾಗಿದ್ದರೂ ಅದರ
ನಿಮಿತ್ತ ಇಸ್ರಾಯೇಲ್ಯರು ಅವನ ಮುಖವನ್ನು ನೋಡಲಾರದೆ ಇದ್ದರು. ೮ ಹೀಗಿದ್ದ ಮೇಲೆ
ದೇವರಾತ್ಮಸಂಬಂಧವಾದ ಸೇವೆಯು ಎಷ್ಟೋ ಹೆಚ್ಚಾಗಿ ಪ್ರಭಾವವುಳ್ಳದ್ದಾಗಿರಬೇಕು.
೯ ಅಪರಾಧನಿರ್ಣಯಕ್ಕೆ ಸಾಧನವಾಗಿರುವ ಸೇವೆಯು ಪ್ರಭಾವದಿಂದಿರಲಾಗಿ ನೀತಿಗೆ
ಸಾಧನವಾಗಿರುವ ಸೇವೆಯು ಎಷ್ಟೋ ಅಧಿಕವಾಗಿ ಪ್ರಭಾವವುಳ್ಳದ್ದಾಗಿರಬೇಕು.
೧೦ ಅಧಿಕವಾದ ಪ್ರಭಾವವುಳ್ಳದ್ದು ಬಂದದರಿಂದ ಮೊದಲಿದ್ದ ಪ್ರಭಾವವು ಅದರ ಬಳಿಯಲ್ಲಿ
ಪ್ರಭಾವವಿಲ್ಲದ್ದಾಯಿತು. ೧೧ ಇಲ್ಲದೆಹೋಗುವಂಥದು ಪ್ರಭಾವವುಳ್ಳದ್ದಾಗಿದ್ದರೆ ಶಾಶ್ವತವಾಗಿ
ಇರುವಂಥದು. ಬಹು ಹೆಚಶಚಾಗಿ ಪ್ರಭಾವವುಳ್ಳದ್ದಾಗಿರಬೇಕಲ್ಲವೇ ೧೨ ಆದದರಿಂದ ನಾವು
ಇಂಥ ಭರವಸವುಳ್ಳವರಾಗಿದ್ದು ಧಾರಾಳವಾಗಿ ಮಾತಾಡುತ್ತೇವೆ. ೧೩ ನಾವು ಮೋಶೆಯಂತೆ
ಮಾಡುವದಿಲ್ಲ. ಗತಿಸಿಹೋಗುವಂಥದರ ಅಂತ್ಯವನ್ನು ಇಸ್ರಾಯೇಲ್ಯರ ಕಣ್ಣಿಟ್ಟು ನೋಡಬಾರದೆಂದು
ಅವನು ತನ್ನ ಮುಖದ ಮೇಲೆ ಮುಸುಕು ಹಾಕಿಕೊಳ್ಳುತ್ತಿದ್ದನು. ೧೪ ಆದರೆ ಅವರ ಬುದ್ಧಿ
ಮಂದವಾಯಿತು. ಆದಿನದವರೆಗೂ ಹಳೇ ಒಡಂಬಡಿಕೆಯು ಪಾರಾಯಣವಾಗುವಾಗ ಅದು
ಕ್ರಿಸ್ತನಲ್ಲಿ ಗತಿಸಿಹೋಗುತ್ತದೆಂಬದು ಅವರಿಗೆ ಪ್ರಕಟವಾಗದೆ ಇರುವದರಿಂದ ಅದೇ ಮುಸುಕು
ಎತ್ತಲ್ಪಡದೆ ಇರುತ್ತದೆ. ೧೫ ಈ ದಿನದವರೆಗೂ ಮೋಶೆಯ ಗ್ರಂಥಪಾರಾಯಣವು ಆಗುವವಾಗೆಲ್ಲಾ
ಮುಸುಕು ಅವರ ಹೃದಯದ ಮೇಲೆ ಇರುತ್ತದೆ. ೧೬ ಅವರ ಹೃದಯವು ಕರ್ತನ ಕಡೆಗೆ

ತಿರಿಗಿಕೊಂಡಾಗಲೇ ಆ ಮುಸುಕು ತೆಗೆಯಲ್ಪಡುವದು. ೧೭ ಆ ಕರ್ತನು ದೇವರಾತ್ಮನೇ. ಕರ್ತನ
ಆತ್ಮನು ಯಾರಲ್ಲಿದ್ದಾನೋ ಅವರಿಗೆ ಬಿಡುಗಡೆ ಉಂಟು. ೧೮ ನಾವೆಲ್ಲರೂ ಮುಸುಕು ತೆಗೆದಿರುವ
ಮುಖದಿಂದ ಕರ್ತನ ಪ್ರಭಾವವನ್ನು ದರ್ಪಣದಲ್ಲಿ ಕಾಣಿಸುತ್ತದೋ ಎಂಬಂತೆ ದೃಷ್ಟಿಸುವವರಾಗಿದ್ದು
ಪ್ರಭಾವದಿಂದ ಅಧಿಕ ಪ್ರಭಾವಕ್ಕೆ ಹೋಗುತ್ತಾ ಆ ಪೃಭಾವದ ಸಾರೂಪ್ಯವುಳ್ಳವರೇ ಆಗುತ್ತೇವೆ.
ಇದು ದೇವರಾತ್ಮನಾಗಿರುವ ಕರ್ತನ ಕೆಲಸಕ್ಕನುಸಾರವಾದದ್ದೇ

### ಸುವಾರ್ತಾ ಸೇವೆಯಲ್ಲಿ ಎಂಥ ಕಷ್ಟಗಳು ಅನುಭವಿಸಿದರೂ ದೇವರ ಸೇವಕರು ಧೈರ್ಯಗೆಡದೆ ಅದನ್ನು ನಡಿಸುವರು. ಎಂಬದು.

೪ ೧ ಆದದರಿಂದ ನಾವು ದೇವರ ಕರುಣೆಯಿಂದ ಈ ಸೇವೆಯನ್ನು ಹೊಂದಿದವರಾಗಿರಲಾಗಿ
ಧೈರ್ಯಗೆಟ್ಟು ಹಿಂದೆಗೆಯುವದಿಲ್ಲ. ೨ ನಾಚಿಕೆಯನ್ನು ಹುಟ್ಟಿಸುವ ಗುಪ್ತಕಾರ್ಯಗಳನ್ನು
ನಾವು ಬಿಟ್ಟು ಬಿಟ್ಟು ತಂತ್ರದಲ್ಲಿ ನಡೆಯದೆ ದೇವರ ವಾಕ್ಯವನ್ನು ಕೆಡಿಸದೇ ಸತ್ಯವನ್ನು
ಪರಿಷ್ಕಾರವಾಗಿ ಬೋಧಿಸುತ್ತಾ ನಾವು ಸಜ್ಜನರೆಂದು ಪ್ರತಿ ಮನುಷ್ಯನ ಮನಸ್ಸು ದೇವರ
ಮುಂದೆ ಒಪ್ಪಬೇಕಾದ ರೀತಿಯಲ್ಲಿ ನಡೆಯುತ್ತೇವೆ. ೩ ನಾವು ಸಾರುವ ಸುವಾರ್ತೆಯು
ಕೆಲವರಿಗೆ ಮರೆಯಾಗಿರುವದಾದರೆ ನಾಶನಮಾರ್ಗದಲ್ಲಿರುವವರಿಗೆ ಮರೆಯಾಗಿರುವದು.
೪ ಇದರಲ್ಲಿ ದೇವರ ಪ್ರತಿರೂಪವಾಗಿರುವ ಕ್ರಿಸ್ತನ ಪ್ರಭಾವವನ್ನು ತೋರಿಸುವ ಸುವಾರ್ತೆಯ
ಪ್ರಕಾಶವು ಉದಯವಾಗಬಾರದೆಂದು ಈ ಪ್ರಪಂಚದ ದೇವರು ನಂಬಿಕೆಯಿಲ್ಲದವರ ಮನಸ್ಸನ್ನು
ಮಂಕು ಮಾಡಿದನು. ೫ ನಮ್ಮನ್ನೇ ಪ್ರಸಿದ್ಧಿಪಡಿಸಿಕೊಳ್ಳದೆ ನಮ್ಮನ್ನು ಯೇಸುವಿನ ನಿಮಿತ್ತ
ನಿಮ್ಮ ದಾಸರೆಂತಲೂ ಕ್ರಿಸ್ತೇಸುವನ್ನೇ ಕರ್ತನೆಂತಲೂ ಪ್ರಸಿದ್ಧಿಪಡಿಸುತ್ತೇವೆ. ೬ ಯಾಕಂದರೆ
ಕತ್ತಲೆಯೊಳಗಿಂದ ಬೆಳಕು ಹೊಳೆಯಲಿ ಎಂದು ಹೇಳಿದ ದೇವರು ತಾನೇ ಯೇಸು ಕ್ರಿಸ್ತನ
ಮುಖದಲ್ಲಿ ತೋರುವ ದೇವಪ್ರಭಾವ ಜ್ಞಾನವೆಂಬ ಪ್ರಕಾಶವು ಅನೇಕರಿಗೆ ಉಂಟಾಗುವದಕ್ಕಾಗಿ
ನಮ್ಮ ಹೃದಯಗಳಲ್ಲಿ ಹೊಳೆದನು.
೭ ಬಲಾಧಿಕ್ಯವು ದೇವರದೇ ಹೊರತು ನಮ್ಮೊಳಗಿಂದ ಬಂದದಲ್ಲವೆಂದು ತೋರುವದಕ್ಕಾಗಿ
ಈ ನಿಕ್ಷೇಪವು ಮಣ್ಣಿನ ಘಟಕಗಳಲ್ಲಿ ನಮಗುಂಟು ೮ ಸರ್ವ ವಿಧದಲ್ಲಿಯೂ ನಮಗೆ ಇಕ್ಕಟ್ಟು
ಇದ್ದರೂ ನಾವು ಅದೇ ಸಂಕಟಪಡುವವರಲ್ಲ. ನಾವು ದಿಕ್ಕುಕಾಣದವರಾಗಿದ್ದರೂ ಕೇವಲ
ದೆಸೆಗೆಟ್ಟವರಲ್ಲ. ೯ ಹಿಂಸೆಪಡುವವರಾಗಿದ್ದರೂ ಕೈಬಿಡಲ್ಪಟ್ಟವರಲ್ಲ.ಕೆಡವಲ್ಪಟ್ಟವರಾಗಿದ್ದರೂ
ಪ್ರಾಣನಷ್ಟಪಡುವವರಲ್ಲ. ೧೦ ಯೇಸುವಿನ ಜೀವವು ನಮ್ಮ ದೇಹದಲ್ಲಿ ಉಂಟೆಂದು
ತೋರಿಬರುವದಕ್ಕಾಗಿ ಯೇಸುವಿನ ಮರಣಾವಸ್ಥೆಯನ್ನು ನಾವು ಯಾವಾಗಲೂ ದೇಹದಲ್ಲಿ
ಅನುಭವಿಸುತ್ತಾ ತಿರುಗಾಡುತ್ತೇವೆ. ೧೧ ಯೇಸುವಿನ ಜೀವವು ನಮ್ಮ ಮೃತ್ಯುಶರೀರದಲ್ಲಿ
ಉಂಟೆಂದು ತೋರಿಬರುವದಕ್ಕಾಗಿ ಬದುಕಿರುವ ನಾವು ಯೇಸುವಿನ ನಿಮಿತ್ತ ಯಾವಾಗಲೂ
ಮರಣಕ್ಕೆ ಒಪ್ಪಿಸಲ್ಪಡುತ್ತಾ ಇದ್ದೇವೆ. ೧೨ ಹೀಗೆ ನಮ್ಮಲ್ಲಿ ಮರಣವು ಪ್ರವರ್ತಿಸುತ್ತದೆ. ಆದರೆ
ನಿಮ್ಮಲ್ಲಿ ಜೀವವು ಪ್ರವರ್ತಿಸುತ್ತದೆ.
೧೩ ಹೀಗಿದ್ದರೂ ನಂಬಿದೆನು. ಆದದರಿಂದ ಮಾತಾಡಿದೆನು. ಎಂಬ ಶಾಸ್ತ್ರೋಕ್ತಿಯಲ್ಲಿ
ಕಾಣವ ನಂಬಿಕೆಯ ಭಾವವನ್ನೇ ಹೊಂದಿ ನಾವೂ ನಂಬಿದವರುಆದದರಿಂದ ಮಾತಾಡುತ್ತೇವೆ.
೧೪ ಕರ್ತನಾದ ಯೇಸುವನ್ನು ಎಬ್ಬಿಸಿದಾತನು ನಮ್ಮನ್ನು ಸಹ ಯೇಸುವಿನಸೊಂದಿಗೆ ಎಬ್ಬಿಸಿ ನಿಮ್ಮ
ಜೊತೆಯಲ್ಲಿ ತನ್ನ ಮುಂದೆ ನಿಲ್ಲಿಸುವನೆಂದು ತಿಳಿದವರಾಗಿದ್ದೇವೆ. ೧೫ ಆ ಬಾಧೆಗಳೆಲ್ಲಾ ನಿಮ್ಮ
ಹಿತಕ್ಕಾಗಿಯೇ ನಮಗೆ ಸಂಭವಿಸುತ್ತವೆ. ಅವುಗಳಲ್ಲಿ ಅಧಿಕವಾಗಿ ದೊರಕುವ ದೈವಕೃಪೆಯು
. ಬಹು ಜನರೊಳಗೆ ಕೃತಜ್ಞತೆಯನ್ನು ಹುಟ್ಟಿಸುವದರಿಂದ ದೇವರಿಗೆ ಹೆಚ್ಚಾದ ಸ್ತೋತ್ರವನ್ನು
ಉಂಟುಮಾಡುವದು.

### ಪರಲೋಕ ಬಾಗ್ಯವನ್ನು ಆಲೋಚಿಸುವಾಗ ಕ್ರಿಸ್ತನಲ್ಲಿರುವವರಿಗೆ ಧೈರ್ಯವಾಗುತ್ತದೆ. ಎಂಬದು

೧೬ ಆದದರಿಂದ ನಾವು ಧೈರ್ಯಗೆಡುವದಿಲ್ಲ. ನಮ್ಮ ದೇಹವು ವಾಶವಾಗುತ್ತಾ ಇದ್ದರೂ ನಮ್ಮ
ಅಂತರ್ಯವು ದಿನೇ ದಿನೇ ಹೊಸದಾಗುತ್ತಾ ಬರುತ್ತದೆ. ೧೭ ಹೇಗೆಂದರೆ ಕ್ಷಣಮಾತ್ರವಿರುವ
ನಮ್ಮ ಹಗುರವಾದ ಸಂಕಟವು ಅಂತ್ಯಂತಾಧಿಕವಾಗಿ ಪ್ರತಿಫಲವನ್ನು ಉಂಟುಮಾಡಿ ನಮಗೆ
ನಿರಂತರವಾಗಿರುವ ಗೌರವವಾದ ಪ್ರಭಾವವನ್ನು ದೊರಕಿಸುತ್ತದೆ. ೧೮ ನಾವು ಕಾಣುವಂಥದ್ದನ್ನು
ಲೆಕ್ಕಿಸದೇ ಕಾಣದಿರುವಂಥದ್ದನ್ನು ಲೆಕ್ಕಿಸುವವರಾಗಿದ್ದೇವೆ. ಕಾಣುವಂಥದ್ದು ಸ್ವಲ್ಪ ಕಾಲ ಮಾತ್ರ
ಇರುವದು . ಕಾಣದಿರುವಂಥದ್ದು ಸದಾಕಾಲವೂ ಇರುವದು.

೫ ೧ ಭೂಮಿಯ ಮೇಲಿರುವ ನಮ್ಮ ಮನೆಯು ಅಂದರೆ ನಮ್ಮ ದೇಹವೆಂಬ ಗುಡಾರವು
ಕಿತ್ತುಹಾಕಲ್ಪಟ್ಟರೂ ದೇವರಿಂದುಂಟಾದ ಒಂದು ಕಟ್ಟಡವು ಪರಲೋಕದಲ್ಲಿ ನಮಗುಂಟೆಂದು
ಬಲ್ಲೆವು. ಅದು ಕೈಯಿಂದ ಕಟ್ಟಿರದ ಮನೆಯಾಗಿರದೆ ನಿತ್ಯವಾಗಿರುವಂಥದ್ದಾಗಿದೆ. ೨ ನಾವು
ಈಗಿನ ದೇಹದಲ್ಲಿರವವರೆಗೂ ನರಳುತ್ತೇವೆ. ಪರಲೋಕದಿಂದ ದೊರಕುವ ನಮ್ಮ ನಿವಾಸವನ್ನು
ನಾವು ದೇಹದ ಮೇಲೆ ಧರಿಸಿಕೊಳ್ಳಬೇಕೆಂದು ತಪೇಕ್ಷಿಸುತ್ತೇವೆ. ೩ ಅಂದರೆ ಆ ದಿನದಲ್ಲಿ ನಾವು
ಇನ್ನೂ ದೇಹದಲ್ಲಿಯೇ ಇದ್ದರೆ ಆ ನಿವಾಸವನ್ನು ದೇಹದ ಮೇಲೆಯೇ ಧರಿಸಿಕೊಳ್ಳುವೆವು.
೪ ಈ ಗುಡಾರದಲ್ಲಿರುವವರಾದ ನಾವು ಬಾರಹೊತ್ತುಕೊಂಡವರಾಗಿ ನರಳುತ್ತೇವೆ. ಇದು
ಕಳಚಿಹೋಗಬೇಕೆಂಬದು ನಮ್ಮ ಇಷ್ಟವಲ್ಲ. ಮರ್ತ್ಯವಾದದ್ದು ನುಂಗಿಹೋಗಿ ಜೀವವೊಂದೇ
ಉಳಿಯುವಂತೆ ಈ ಗುಡಾರದ ಮೇಲೆ ಆ ನಿವಾಸವನ್ನು ಧರಿಸಿಕೊಳ್ಳಬೇಕೆಂಬುವದೇ
ನಮ್ಮ ಇಷ್ಟ. ೫ ಆ ಸ್ಥಿತಿಗಾಗಿ ನಮ್ಮನ್ನು ಸಿದ್ದಮಾಡಿಕೊಂಡಿರುವವನು ದೇವರೇ. ಆತನು
ಪವಿತ್ರಾತ್ಮನನ್ನು ಸಂಚಕಾರವಾಗಿ ಅನುಗ್ರಹಿಸಿದ್ದಾನೆ. ೬ ಹೀಗಿರುವದರಿಂದ ನಾವು ಯಾವಾಗಲೂ
ಧೈರ್ಯವುಳ್ಳವರಾಗಿದ್ದೇವೆ. ೭ ನಾವು ನೋಡುವವರಾಗಿ ನಡೆಯದೇ ನಂಬುವವರಾಗಿಯೇ
ನಡೆಯುತ್ತೆವಾದದರಿಂದ ದೇಹದಲ್ಲಿ ವಾಸಿಸುವವರೆಗೂ ಕರ್ತನಿಗೆ ದೂರದಲ್ಲಿರುವ
ಪ್ರವಾಸಿಗಳಾಗಿದ್ದೇವೆಂಬದನ್ನು ಬಲ್ಲೆವು. ೮ ಇದನ್ನು ಆಲೋಚಿಸಿ ನಾವು ಧೈರ್ಯವುಳ್ಳವರಾಗಿದ್ದು
ದೇಹವನ್ನು ಬಿಟ್ಟು ಕರ್ತನ ಬಳಿಯಲ್ಲಿ ಇರುವದೇ ಉತ್ತಮವೆಂದು ಎಣಿಸಿದ್ದೇವೆ. ೯ ಆದ್ದರಿಂದ
ನಾವು ದೇಹವೆಂಬ ಮನೆಯಲ್ಲಿದ್ದರೂ ಸರಿಯೆ ಅದನ್ನು ಬಿಟ್ಟದ್ದರೂ ಸರಿಯೇ ಕರ್ತನಿಗೆ
ಮೆಚ್ಚುವವರಾಗಬೇಕೆಂಬುದೇ ನಮ್ಮ ಗುರಿಯಾಗಿದೆ. ೧೦ ಯಾಕಂದರೆ ಪ್ರತಿಯೊಬ್ಬನು
ತನ್ನ ದೇಹದ ಮೂಲಕ ಸಡೆಸಿದ ಒಳ್ಳೆದಕ್ಕಾಗಲಿ ಕೆಟ್ಟದ್ದಕ್ಕಾಗಲಿ ಸರಿಯಾಗಿ ಪ್ರತಿಫಲವನ್ನು
ಹೊಮದುವದಕ್ಕೋಸ್ಕರ ನಾವೆಲ್ಲರೂ ಕ್ರಿಸ್ತನ ನ್ಯಾಯಾಸನದ ಮುಂದೆ ಯಥಾಸ್ಥಿತಿಯಲ್ಲಿ
ಕಾಣಿಸಿಕೊಳ್ಳಬೇಕು.

### ಅಪೊಸ್ತಲರು ಕ್ರಿಸ್ತನ ಪ್ರೀತಿಯಿಂದ ಪ್ರೇರಣೆಹೊಂದಿ ಸಮಾದಾನದ ವಾಕ್ಯವನ್ನು ಹೇಳುವ ರಾಯಭಾರಿಗಳಾಗಿ ಎಲ್ಲಾ ಸಂಗತಿಗಳಲ್ಲಿ ತಮ್ಮನ್ನು ದೇವರ ಸೇವಕರೆಂದು ತೋರಿಸಿಕೊಂಡದ್ದು.

೧೧ ಕರ್ತನ ಭಯವು ನಮಗಿರುವದರಿಂದ ನಾವು ಮನುಷ್ಯನನ್ನು ಒಡಂಬಡಿಸುತ್ತೇವೆ. ನಾವು
ಯಥಾರ್ಥರೆಂಬುದು ದೇವರಿಗೆ ಗೊತ್ತುಂಟು. ನಿಮ್ಮ ಮನಸ್ಸಿಗೆ ಕೂಡಾ ಗೊತ್ತಾಗಿದೆ ಎಂದು
ನಂಬಿಕೊಂಡಿದ್ದೇನೆ. ೧೨ ನಾವು ನಮ್ಮನ್ನು ತಿರಿಗಿ ನಿಮ್ಮ ಮುಂದೆ ಹೊಗಳಿಕೊಳ್ಳುವದಿಲ್ಲ.
ಆದರೆ ಯಾರು ಹೃದಯದ ವಿಷಯದಲ್ಲಿ ಹಿಗ್ಗದೆ ತೋರಿಕೆಯ ವಿಷಯದಲ್ಲಿ ಮಾತ್ರ
ಹಿಗ್ಗುತ್ತಾರೋ ಅವರಿಗೆ ಪ್ರತ್ಯುತ್ತರ ಹೇಳುವದಕ್ಕೆ ನಿಮಗೆ ಆಧಾರವಿರಬೇಕೆಂದು ನಮ್ಮ
ವಿಷಯದಲ್ಲಿ ಹಿಗ್ಗುವದಕ್ಕೆ ನಿಮಗೆ ಆಸ್ಪದ ಕೊಡುತ್ತೇವೆ. ೧೩ ನಮಗೆ ಬುದ್ದಿ ಪರವಶವಾಗಿದ್ದರೆ
ಅದು ದೇವರ ಮಹಿಮೆಗಾಗಿಯೆ ಅದೆ. ನಿಮಗೆ ಸ್ವಸ್ಥ ಬುದ್ದಿ ಇದ್ದರೆ ಅದು ನಿಮ್ಮ
ಪ್ರಯೋಜನಕ್ಕಾಗಿ ಅದೆ. ೧೪ ಕ್ರಿಸ್ತನ ಪ್ರೀತಿಯು ನಮಗೆ ಒತ್ತಾಯ ಮಾಡತ್ತದೆ. ಎಲ್ಲರಿಗೋಸ್ಕರ
ಒಬ್ಬನು ಸತ್ತದ್ದರಿಂದ ಎಲ್ಲರೂ ಸತ್ತಂತಾಯಿತೆಂದು ನಿಶ್ಚಯಿಸಿಕೊಂಡೆವು. ೧೫ ಜೀವಿಸುವವರು
ಇನ್ನು ಮೇಲೆ ತಮಗಾಗಿ ಜೀವಿಸದೇ ತಮಗೋಸ್ಕರ ಸತ್ತು ಎದ್ದು ಬಂದಾತನಿಗಾಗಿ
ಜೀವಿಸಬೇಕಂತಲೇ ಆತನು ಎಲ್ಲರಿಗೋಸ್ಕರ ಸತ್ತನು. ೧೬ ಹೀಗಿರಲಾಗಿ ಇಂದಿನಿಂದ
ನಾವು ಯಾರನ್ನೂ ಶರೀರ ಸಂಭಂದವಾಗಿ ಅರಿತುಕೊಳ್ಳುವದಿಲ್ಲ. ಕ್ರಿಸ್ತನನ್ನು ಕೂಡಾ ನಾವು
ಶರೀರ ಸಂಭಂದವಾಗಿ ತಿಳಿದಿದ್ದರೂ ಇನ್ನು ಮುಂದೆ ಆತನನ್ನು ಹಾಗೆ ತಿಳಿದುಕೊಳ್ಳುವದಿಲ್ಲ.
೧೭ ಹೀಗಿರಲಾಗಿ ಯಾವನಾದರೂ ಕ್ರಿಸ್ತನಲ್ಲಿದ್ದರೆ ಅವನು ನೂತನ ಸೃಷ್ಟಿಯಾದನು ಇಗೋ
ಪೂರ್ವಸ್ಥಿತಿ ಹೋಗಿ ಎಲ್ಲಾ ನೂತನವಾಯಿತು. ೧೮ ಇದೆಲ್ಲಾ ದೇವರಿಂಲೇ ಉಂಟಾದದ್ದು.
ಆತನು ಕ್ರಿಸ್ತನ ಮೂಲಕ ನಮ್ಮನ್ನು ತನಗೆ ಸಮಾಧಾನ ಪಡಿಸಿಕೊಂಡು ಸಮಾದಾನವಿಷಯವಾದ
ಸೇವೆಯನ್ನು ನಮಗೆ ಅನುರ್ಗಹಿಸಿದ್ದಾನೆ. ೧೯ ಆ ಸಮಾದಾನ ವಾಕ್ಯವೇನಂದರೆ ದೇವರು
ಮನುಷ್ಯರ ಅಪರಾಧಗಳನ್ನು ಅವರ ಲೆಕ್ಕಕ್ಕೆ ಹಾಕದೇ ಲೋಕವನ್ನು ಕ್ರಿಸ್ತನಲ್ಲಿ ತನಗೆ ಸಮಾಧಾನ
ಪಡಿಸಿಕೊಳ್ಳುತ್ತಿದ್ದನೆಂಬದೇ ಅದನ್ನು ಸಾರುವ ಸೇವೆಗೆ ನಮ್ಮನ್ನು ನೇಮಿಸಿದ್ದಾನೆ.
೨೦ ನಾವು ಕ್ರಿಸ್ತನ ರಾಯಭಾರಿಗಳಾಗಿದ್ದೇವೆ. ದೇವರೆ ನಮ್ ಮೂಲಕ ಬುದ್ದಿಹೇಳುವ
ಹಾಗಾಯಿತು .ದೇವರೊಂದಿಗೆ ಸಮಾದಾನವಾಗಿರಲೆಂದು ಕ್ರಿಸ್ತನ ಹೆಸರಿನಲ್ಲಿ ನಿಮ್ಮನ್ನು
ಬೇಡಿಕೊಳ್ಳುತ್ತೇನೆ. ೨೧ ನಾವು ಆತನಲ್ಲಿ ದೇವರಿಗೆ ಸಮರ್ಪಕರಾದ ನೀತಿಸ್ವರೂಪಿಗಳಾಗುವಂತೆ
ದೇವರು ಪಾಪಜ್ಞಾನವಿಲ್ಲದ ಆತನನ್ನು ನಮಗೋಸ್ಕರ ಪಾಪಸ್ವರೂಪಿಯಾಗಮಾಡಿದನು.

೬ [೧] ನಾವು ಆತನೊಂದಿಗೆ ಕೆಲಸನಡಿಸುವವರಾಗಿದ್ದು ನೀವು ಹೊಂದಿದ ದೇವರ ಕೃಪೆಯನ್ನು
ವ್ಯರ್ಥಮಾಡಿಕೊಳ್ಳಬೇಡಿರೆಂದಿ ಎಚ್ಚರಿಸುತ್ತೇವೆ. [೨] ಪ್ರಸನ್ನತೆಯ ಕಾಲದಲ್ಲಿ ನಿನ್ನ
ಮನವಿಯನ್ನು ಕೇಳಿದೆನು ರಕ್ಷಣೆಯ ದಿನದಲ್ಲಿ ನಿನಗೆ ಸಹಾಯ ಮಾಡಿದೆನು ಎಂದು ದೇವರು
ಹೇಳುತ್ತಾನಲ್ಲಾ ಈಗಲೇ ಆ ಪ್ರಸನ್ನತೆಯ ಕಾಲ .ಇದೇ ಆ ರಕ್ಷಣೆಯ ದಿನ [೩-೪] ನಿಂದೆಗೆ
ಅವಕಾಶಕೊಡದೇ ಎಲ್ಲಾ ಸಂಗತಿಗಳಲ್ಲಿ ದೇವರ ಸೇವಕರೆಂದು ನಮ್ಮನ್ನು ಸಮ್ಮತರಾಗ
ಮಾಡಿಕೊಳ್ಳುತ್ತೇವೆ. ನಾವು ಸಂಕಟದಲ್ಲಿಯೂ ಕೊರತೆಗಳಲ್ಲಿಯೂ ಇಕ್ಕಟ್ಟುಗಳಲ್ಲಿಯೂ
ಪೆಟ್ಟುಗಳಲ್ಲಿಯೂ [೫] ಸೆರೆಮನೆಗಳಲ್ಲಿಯೂ ಕಲಹಗಳಲ್ಲಿಯೂ ಕಷ್ಟವಾದ ಕೆಲಸಗಳಲ್ಲಿಯೂ
ನಿದ್ದೆಗೇಡುಗಳಲ್ಲಿಯೂ ಉಪವಾಸದಲ್ಲಿಯೂ ಬಹು ತಾಳ್ಮೆಯನ್ನು ತೋರಿಸುತ್ತೇವೆ.
[೬] ಶುದ್ಧಮನಸ್ಸು ಜ್ಞಾನದೀರ್ಘಶಾಂತಿ ದಯೆ ಪವಿತ್ರಾತ್ಮ . [೭] ಕಪಟವಿಲ್ಲದ ಪ್ರೀತಿ ಸತ್ಯವಾಕ್ಯ
ದೇವರ ಮಹತ್ವ ಇವುಗಳಿಂದ ಕೂಡಿದವರಾಗಿದ್ದೇವೆ. ಎಡಬಲಗೈಗಳಲ್ಲಿ ನೀತಿಯೆಂಬ
ಆಯುಧಗಳನ್ನು ಧರಿಸಿಕೊಂಡವರೂ [೮] ಮಾನ ಅವಮಾನ ಕೀರ್ತಿ ಅಪಕೀರ್ತಿಗಳನ್ನು
ಹೊಂದಿದವರೂ ಆಗಿದ್ದೇವೆ. ಮೋಸ ಗಾರರೆನಿಸಿಕೊಂಡರೂ ಸತ್ಯವಂತರೂ,
[೯] ಅಜ್ಞಾತರೆನಿಸಿಕೊಂಡರೂ ವಿಜ್ಞಾತರೂ ಸಾಯುವವರಾಗಿ ತೋರಿದರೂ ಬದುಕುವವರೂ
ಆಗಿದ್ದೇವೆ. ಶಿಕ್ಷೆಹೊಂದುವವರಾಗಿದ್ದರೂ ಕೊಲ್ಲಲ್ಪಡದವರೂ , [೧೦] ದುಃಖಪಡುವವರಾಗಿದ್ದರೂ
ಯಾವಾಗಲೂ ಸಂತೋಷಪಡುವವರೂ ಬಡವರಾಗಿದ್ದರೂ ಅನೇಕರಿಗೆ ಐಶ್ವರ್ಯವನ್ನುಂಟು
ಮಾಡುವವರೂ ಏನೂ ಇಲ್ಲದವರಾಗಿದ್ದರೂ ಎಲ್ಲಾ ಇದ್ದವರೂ ಆಗಿದ್ದೇವೆ.

### ಕೊರಿಂಥದವರು ಒಳ್ಳೆ ಮಕ್ಕಳಂತೆ ತನ್ನನ್ನು ಪ್ರೀತಿಸಬೇಕೆಂದು ಪೌಲನು ಕೇಳಿಕೊಂಡದ್ದು.

[೧೧] ಕೊರಿಂಥದವರೇ ನಾನು ನಿಮ್ಮೊಡನೆ ಧಾರಾಳವಾಗಿ ಆತಾಡುತ್ತಾ ಇದ್ದೇವೆ. ನಮ್ಮ
ಹೃದಯವು ನಿಮ್ಮ ವಿಷಯದಲ್ಲಿ ವಿಶಾಲವಾಯಿತು. [೧೨] ನಿಮ್ಮ ಮೇಲಿರುವ ನಮ್ಮ ಪ್ರೀತಿ
ಸಂಕೋಚವಾದದ್ದಲ್ಲ. ನಿಮ್ಮ ಪ್ರೀತಿಯೆ ಸಂಕೋಚವಾದದ್ದು. [೧೩] ನಿಮ್ಮ ವಿಷಯದಲ್ಲಿ
ನಮ್ಮ ಹೃದಯವು ವಿಶಾಲವಾಗಿರುವದರಿಂದ ನಮ್ಮ ವಿಷಯದಲ್ಲಿ ನಿಮ್ಮ ಹೃದಯವನ್ನು
ವಿಶಾಲಮಾಡಿಕೊಳ್ಳಿರಿ. ನೀವು ನನ್ನ ಮಕ್ಕಳೆಂದು ಭಾವಿಸಿ ಹೀಗೆ ಹೇಳುತ್ತೇನೆ.

### ಕ್ರೈಸ್ತರು ಅನ್ಯಜನಗಳ ಸಂಸರ್ಗದಿಂದ ಕೆಡಬಾರದು.

[೧೪] ನೀವು ಕ್ರಿಸ್ತ ನಂಬಿಕೆಯಿಲ್ಲದವರೊಂದಿಗೆ ಸೇರಿ ಇಜಜ್ಜೋಡಾಗಬೇಡಿರಿ. ಧರ್ಮಕ್ಕೂ
ಅಧರ್ಮಕ್ಕೂ ಜೊತೆಯೇನು? [೧೫] ಬೆಳಕಿಗೂ ಕತ್ತಲೆಗೂ ಐಕ್ಯವೇನು? ಕ್ರಿಸ್ತನಿಗೂ ಸೈತಾಣಿಗೂ
ಒಡನಾಟವೇನು? ನಂಬುವವನಿಗೂ ನಂದೆ ಇರುವವನಿಗೂ ಪಾಲುಗಾರಿಕೆಯೇನು?
[೧೬] ದೇವಮಂದಿರಕ್ಕೂ ವಿಗ್ರಹಗಳಿಗೂ ಒಪ್ಪಿಗೆಯೇನು? ನಾವು ಜೀವಸ್ವರೂಪನಾದ ದೇವರ
ಮಂದಿರವಾಗಿದ್ದೇವಲ್ಲಾ ಇದರ ಸಂಭಂದವಾಗಿ ದೇವರು – ನಾನು ಅವರಲ್ಲಿ ವಾಸಿಸುತ್ತಾ
ತಿರುಗಾಡುವೆನು ನಾನು ಅವರಿಗೆ ದೇವರಾಗಿರುವೆನು. ಅವರು ಣಗೆ ಪ್ರಜೆಯಾಗಿರುವರು.ಎಂದು
ಹೇಳಿದ್ದಾನೆ. [೧೭] ಆದದರಿಂದ ಅನ್ಯಜನರ ಮದ್ಯದಲ್ಲಿಂದ ಹೊಟುಬಂದು ಪ್ರತ್ಯೇಕವಾಗಿರಿ.
ಅಶುದ್ಧವಾದ ಯಾವುದನ್ನೂ ಮುಟ್ಟದಿರಿ ಎಂದು ಕರ್ತನು ಹೇಳುತ್ತಾನೆ. [೧೮] ಇದಲ್ಲದೆ ನಾನು
ನಿಮ್ಮನ್ನು ಸೇರಿಸಿಕೊಂಡು ನಿಮಗೆ ತಂದೆಯಾಗಿರುವೆನು. ನೀವು ನನಗೆ ಕುಮಾರ
ಕುಮಾರಿಯರು ಆಗಿರುವಿರೆಂದು ಸರ್ವಶಕ್ತನಾದ ಕರ್ತನು ಹೇಳುತ್ತಾನೆ.

೭ [೧] ಪ್ರಿಯರೇ ಈ ವಾಗ್ದಾನಗಳು ನಮಗಿರುವದರಿಂದ ನಾವು ಶರೀರಾತ್ಮಗಳ ಕಲ್ಮಶವನ್ನು
ತೊಲಗಿಸಿ ನಮ್ಮನ್ನು ಶುಚಿಮಾಡಿಕೊಂಡು ದೇವರ ಭಯದಿಂದ ಕೂಡಿದವರಾಗಿ
ಪವಿತ್ರತ್ವವನ್ನು ಸಿದ್ದಿಗೆ ತರುವದಕ್ಕೆ ಪ್ರಯತ್ನಿಸೋಣ.

### ಪೌಲನು ತಾನು ಮೊದಲು ಬರೆದ ಪತ್ರಿಕೆಯಿಂದ ಫಲವಾಯಿತೆಂದು ಸಂತೋಷಪಟ್ಟದ್ದು.

[೨] ನಿಮ್ಮ ಹೃದಯಗಳಲ್ಲಿ ನಮಗೆ ಸ್ಥಳ ಕೊಡಿರಿ. ನಾವು ನಿಮ್ಮಲ್ಲಿ ಯಾರಿಗೂ ಅನ್ಯಾಯ
ಮಾಡಲಿಲ್ಲ. ಯಾರನ್ನೂ ಕೆಡಿಸಲಿಲ್ಲ ಯಾರನ್ನೂ ವಂಚಿಸಲಿಲ್ಲ. [೩] ನಿಮ್ಮ ಮೇಲೆ
ತಪ್ಪುಹೊರಿಸಬೇಕೆಂದು ನಾನು ಇದನ್ನು ಹೇಳುವದಿಲ್ಲ. ಕೂಡಾ ಸಾಯುವದಕ್ಕೂ ಕೂಡಾ
ಬದುಕುವದಕ್ಕೂ ನೀವು ನಮ್ಮ ಹೃದಯದಲ್ಲಿದ್ದೀರೆಂದು ಮೊದಲೇ ಹೇಳಿದ್ದೇನಲ್ಲಾ. [೪] ನಿಮ್ಮಲ್ಲಿ
ನನಗೆ ಬಹಳ ಭರವಸೆ ಉಂಟು. ನಿಮ್ಮ ವಿಷಯದಲ್ಲಿ ನನ್ನ ಉತ್ಸಾಹ ಬಹಳ. ಪರಿಪೂರ್ಣ ಆಧರಣೆ
ನನಗಾಯಿತು. ನಮಗಾಗುವ ಎಲ್ಲಾ ಸಂಕಟಗಳಲ್ಲಿ ಅತ್ಯಧಿಕವಾದ ಸಂತೋಷದಿಂದ ತುಂಬಿದ್ದೇನೆ.

೫ನಾವು ಮೆಕೆದೋನ್ಯಕ್ಕೆ ಬಂದಾಗ ನಮ್ಮ ಮನಸ್ಸಿಗೆ ಏನೂ ಉಪಶಮನವಾಗಲಿಲ್ಲ.
ಎಲ್ಲಾ ವಿಷಯಗಳಲ್ಲಿಯೂ ನಮಗೆ ಸಂಕಟವಿತ್ತು. ಹೊರಗೆ ಕಲಹ ಒಳಗೆ ಭಯ ೬ಆದರೆ
ದೀನಾವಸ್ಥೆಯಲ್ಲಿರುವವರನ್ನು ಸಂತೈಸುವ ದೇವರು ತೀತನ ಬರುವೊಕೆಯಿಂದ ನಮ್ಮನ್ನು
ಸಂತೈಸಿದನು. ೭ಅವನು ಬರುವಿಕೆಯಿಂದ ಮಾತ್ರವಲ್ಲದೆ ಅವನು ತಾನು ನಿಮ್ಮಲ್ಲಿ ಬಹಳ
ಆಧರಣೆಯನ್ನು ಹೊಂದಿದ್ದೇನೆಂದು ಹೇಳಿದ್ದರಿಂದಲೂ ನಮ್ಮನ್ನು ಸಂತೈಸಿದನು. ಅವನು ನಿಮ್ಮ
ಹಂಬಲ. ನಿಮ್ಮ ಗೋಳಾಟ. ನನ್ನ ವಿಷಯವಾದ ನಿಮ್ಮ ಆಸಕ್ತಿ ಇವುಗಳನ್ನು ನಮಗೆ ತಿಳಿಸಿದಾಗ
ನಾನು ಹೆಚ್ಚಾಗಿ ಸಂತೋಷಪಟ್ಟೆನು.
೮ನಾನು ಬರೆದ ಪತ್ರಿಕೆಯು ನಿಮ್ಮ ದುಃಖಪಡಿಸಿದರೂ ನನಗೆ ಪಶ್ಚಾತ್ತಾಪವಿಲ್ಲ. ಅದು
ನಿಮ್ಮನ್ನು ಒಂದು ಗಳಿಗೆ ಹೊತ್ತಾದರೂ ದುಃಖಪಡಿತೆಂದು ನಾನು ಮೊದಲು ಪಶ್ಚಾತ್ತಾಟಿಟ್ಟರೂ
ಈಗ ಸಂತೋಷಪಡುತ್ತೇನೆ. ೯ನಿಮಗೆ ದುಃಖವಾಯಿತೆಂದು ನಾನು ಸಂತೋಷಪಡದೇ
ನೀವು ದುಃಖಪಟ್ಟು ಬೇರೆ ಮನಸ್ಸನ್ನು ಹೊಂದಿದ್ದಕ್ಕಾಗಿ ಸಂತೋಷಪಡುತ್ತೇನೆ.
ನೀವು ದೇವರ ಚಿತ್ತಾನುಸಾರವಾಗಿ ದುಃಖಿಸಿದ್ದರಿಂದ ನಮ್ಮಿಂದ ಯಾವುದರಲ್ಲಿಯೂ
ನಷ್ಟಪಡಲಿಲ್ಲವಲ್ಲಾ. ೧೦ದೇವರ ಚಿತ್ತಾನುಸಾರವಾಗಿರುವ ದುಃಖವು ಮಾನಸಾಂತರವನ್ನುಂಟು
ಮಾಡಿ ರಕ್ಷಣೆಯ ಕಾರಣವಾಗಿದೆ. ಆ ಮಾನಸಾಂತರದಲ್ಲಿ ಪಶ್ಚಾತ್ತಾಪಕ್ಕೆ ಆಸಪದವಿಲ್ಲ.
ಆದರೆ ಲೋಕದವರಿಗಿರುವಂಥ ದುಃಖವು ಮರಣವನ್ನುಂಟುಮಾಡುತ್ತದೆ. ೧೧ನೀವು
ದೇವರ ಚಿತ್ತಾನುಸಾರವಾಗಿ ಪಟ್ಟ ದುಃಖವು ನಿಮಗೆ ಎಂಥ ತಹತಹವನ್ನು ಉಂಟುಮಾಡಿತು
ನೋಡಿರಿ. ನೀವು ನಿರ್ದೋಷಿಗಳೆಂದು ಸ್ಥಾಪಿಸುವದಕ್ಕೆ ಎಷ್ಟೋ ಪ್ರಯಾಸಪಟ್ಟಿರಿ.
ಎಷ್ಟೋ ಮನೋವ್ಯಥೆಯನ್ನು ಅನುಭವಿಸಿದ್ದೀರಿ. ಎಂಥ ಭಯವನ್ನು ಎಂಥ ಹಂಬಲವನ್ನು
ತೋರಿಸಿದ್ದೀರಿ. ಮಾನಹಾನಿಗಾಗಿ ಎಷ್ಟೋ ರೋಷಪಟ್ಟು ಶಿಕ್ಷೆಮಾಡಿದಿರಿ. ನೀವು ಆ
ಕಾರ್ಯಕ್ಕೆ ಸೇರಿದವರಲ್ಲವೆಂಬದನ್ನು ಎಲ್ಲಾ ವಿಧದಲ್ಲಿಯೂ ತೋರಿಸಿದ್ದೀರಿ. ೧೨ನಾನು
ನಿಮಗೆ ಬರೆದಾಗ ಅನ್ಯಾಯಮಾಡಿದವನಿಗೆ ದಂಡನೆಯೂ ಅನ್ಯಾಯಹೊಂದಿದವನಿಗೆ
ನ್ಯಾಯವೂ ಆಗಬೇಕೆಂಬ ಕಾರಣದಿಂದ ಬರೆಯಲಿಲ್ಲ. ನಮಗೋಸ್ಕರ ನಿಮಗಿರುವ ಆಸಕ್ತಿಯು
ದೇವರ ಮುಂದೆ ನಿಮಗೆ ವ್ಯಕ್ತವಾಗಬೇಕೆಂಬುವ ಉದ್ದೇಶದಿಂದಲೇ ಬರೆದೆನು.
೧೩ಆದಕಾರಣ ನಮ್ಮ ಮನಸ್ಸ್ಗ ಆಧರಣೆ ಉಂಟಾಯಿತು . ಅಷ್ಟು ಮಾತ್ರವೇ ಅಲ್ಲ. ತೀತನು
ಮನಸ್ಸಿಗೆ ನಿಮ್ಮೆಲ್ಲರಿಂದ ಉಪಶಮನವಾದ ಕಾರಣ ನಾವು ಅವನ ಸಂತೋಷವನ್ನು ನೋಡಿ
ಮತ್ತು ಹೆಚ್ಚಾಗಿ ಸಂತೋಷಪಟ್ಟೆವು. ೧೪ಯಾಕಂದರೆ ನಾನು ಅವನ ಮುಂದೆ ನಿಮ್ಮನ್ನು
ಹೊಗಳಿದ್ದರಲ್ಲಿ ನಾಚಿಕೆಪಡಬೇಕಾಗಿ ಬರಲಿಲ್ಲ. ನಾವು ನಿಮಗೆ ಹೇಳಿದ ಎಲ್ಲಾ ಮಾತುಗಳು
ಹೇಗೆ ಸತ್ಯವಾಗಿದ್ದವೋ ಹಾಗೆ ನಾವು ತೀತನ ಮುಂದೆ ಆಡಿದ ಹೊಗಳಿಕೆಯ ಮಾತುಗಳು
ಸತ್ಯವೆಂದು ಕಂಡುಬಂದವು. ೧೫ನೀವು ಮನೋಬೀತಿಯಿಂದ ನಡುಗುವವರಾಗಿ ಅವನನ್ನು
ಸೇರಿಸಿಕೊಂಡದ್ದರಲ್ಲಿ ನಿಮ್ಮೆಲ್ಲರ ವಿಧೇಯತೆಯು ತೋರಿಬಂದು ಅವನು ಅದನ್ನು
ಜ್ಞಾಪಕಮಾಡಿಕೊಳ್ಳುವಾಗ ನಿಮ್ಮ ಮೇಲೆ ಅವನ ಕನಿಕರವು ಹೆಚ್ಚಾಗಿದೆ. ೧೬ಸರ್ವ ವಿಷಯದಲ್ಲಿ
ನಿಮ್ಮನ್ನು ಕುರಿತು ನನಗೆ ಭರವಸವಿರುವದರಿಂದ ಸಂತೋಷಪಡುತ್ತೇನೆ.

### ಯೆರೂಸಲೇಮಿನ ಬಡ ಕ್ರೈಸ್ತರಿಗಾಗಿ ಹಣ ಸಹಾಯ ಮಾಡುವದರ ವಿಷಯ

(೮.೧-೯.೧೫)

ಪೌಲನು ಮೆಕೆದೋನ್ಯದ ಸಭೆಗಳವರ ಔದಾರ್ಯವನ್ನು ಕುರಿತು ಹೇಳಿ
ಕೊರಿಂಥದವರಲ್ಲಿಯೂ ಔದಾರ್ಯವನ್ನು ಹುಟ್ಟಿಸುವದಕ್ಕೆ ಪ್ರಯತ್ನಿಸಿದ್ದು.

೮ ೧ಸಹೋದರರೇ.ಮೆಕೆದೋನ್ಯದ ಸಭೆಗಳಲ್ಲಿ ದೇವರ ಕೃಪೆಯು ತೋರಿದ ಬಗೆಯನ್ನು
ನಿಮಗೆ ತೀಳಿಸುತ್ತೇವೆ. ೨ಆ ಸಭೆಗಳವರು ಬಹಳ ಹಿಂಸೆ ತಾಳುವವರಾದರೂ
ಮತ್ತು ವಿಪರೀತವಾದ ಬಡತನದಲ್ಲಿದ್ದರೂ ಬಹು ಆನಂದದಿಂದ ತುಂಬಿದವರಾಗಿ ಅತ್ಯಂತ
ಔದಾರ್ಯವುಳ್ಳವರಾದರು. ೩ಅವರು ಶಕ್ತ್ಯಾನುಸಾರವಾಗಿ ಮಾತ್ರ ಕೊಡದೆ ಶಕ್ತಿಯನ್ನು ಮೀರಿ
ತನ್ನಷ್ಟಕ್ಕೆ ತಾವೇ ಕೊಟ್ಟರು. ೪ಇದಕ್ಕೆ ನಾನೇ ಸಾಕ್ಷಿ. ದೇವ ಜನರಿಗೆ ಸಹಾಯ ಮಾಡುವ
ಕೆಲಸದಲ್ಲಿ ತಾವು ಪಾಲುಗಾರರಾಗುವಂತೆ ಅಪ್ಪಣೆಯಾಗಬೇಕೆಂದು ನಮ್ಮನ್ನು ಬಹಳವಾಗಿ
ಬೇಡಿಕೊಂಡರು. ೫ನಾವು ನೆನಸಿದ ಪ್ರಕಾರವಾಗಿ ಅವರು ಕೊಡದೆ ಮೊದಲು ತಮ್ಮನ್ನೇ
ಕರ್ತನಿಗೆ ಒಪ್ಪಿಸಿಕೊಟ್ಟರು. ಆನಂತರ ದೆವರು ಚಿತ್ತಾನುಸಾರವಾಗಿ ನಮಗೂ ತಮ್ಮನ್ನು

ಒಪ್ಪಿಸಿದರು. ೬ ಹೀಗಿರಲಾಗಿ ಈ ಧರ್ಮಕಾರ್ಯವನ್ನು ಮಾಡುವದಕ್ಕೆ ಮೊದಲು ನಿಮ್ಮನ್ನು
ಪ್ರೇರೇಪಿಸಿದ ತೀತನು ತಿರಿಗಿ ನಿಮ್ಮ ಬಳಿಗೆ ಬಂದು ಅದನ್ನು ತೀರರಸಬೇಕೆಂದು ನಾವು
ಅವನನ್ನು ಕೇಳಿಕೊಂಡಿದ್ದೇವೆ. ೭ ನೀವು ದೇವರ ಮೇಲಣ ನಂಬಿಕೆ ವಾಕ್ಚಾತುರ್ಯ ಜ್ಞಾನ
ಸಕಲ ವಿಧವಾದ ಆಸಕ್ತಿ ನಮ್ಮ ಪ್ರೇರಣೆಯಿಂದ ನಿಮ್ಮಲ್ಲಿ ಹುಟ್ಟಿದ ಪ್ರೀತಿ ಇವೇ ಮೊದಲಾದ
ಎಲ್ಲಾ ವಿಷಯಗಳಲ್ಲಿ ಹೇಗೆ ಸಮೃದ್ಧರಾಗಿದ್ದೀರೋ ಹಾಗೆಯೆ ಈ ಧರ್ಮಕಾರ್ಯದಲ್ಲಿಯೂ
ಸಮೃದ್ಧರಾಗಿರಿ.
೮ ಇದನ್ನು ಆಜ್ಞಾರೂಪವಾಗಿ ಹೇಳದೆ ಇತರರ ಆಸ್ತಿಯನ್ನು ತೋರಿಸಿಕೊಟ್ಟು ನಿಮ್ಮ ಪ್ರೀತಿಯು
ಯಥಾರ್ಥವಾದದ್ದೆಂಬದನ್ನು ಪರೀಕ್ಷೆಯಿಂದ ತಿಳುಕೊಳ್ಳಬೇಕೆಂದು ಹೇಳುತ್ತೇನೆ. ೯ ನಮ್ಮ
ಕರ್ತನಾದ ಯೇಸು ಕ್ರಿಸ್ತನ ಕೃಪೆಯು ನಿಮಗೆ ಗೊತ್ತಾಗಿದೆಯಲ್ಲಾ ಆತನು ಐಶ್ವರ್ಯವಂತನಾಗಿದ್ದು
ತಾನು ಬಡತನದಲ್ಲಿ ಸೇರುವದರಿಂದ ನೀವು ಐಶ್ವರ್ಯವಂತರಾಗಬೇಕೆಂದು ನಿಮಗೋಸ್ಕರ
ಬಡವನಾದಬು. ೧೦ ಈ ಧರ್ಮಕಾರ್ಯವನ್ನು ಕುರಿತು ನನ್ನ ಅಭಿಪ್ರಾಯವನ್ನು ತಿಳಿಸುತ್ತೇನೆ. ಈ
ಕಾರ್ಯವನ್ನು ಒಂದು ವರ್ಷದ ಹಿಂದೆ ನಡೆಸುವದಕ್ಕೆ ತೊಡಗುವದರಲ್ಲಿಯೂ ನಡಿಸಬೇಕೆಂದು
ಮನಸ್ಸು ಮಾಡುವದರಲ್ಲಿಯೂ ನೀವು ಅವರಿಗಿಂತ ಮೊದಲಿನವರಾದದರಿಂದ ನಮಗ
ಅಷ್ಟು ಮಾತ್ರ ಹೇಳುವದು ವಿಹಿತವಾಗಿದೆ. ೧೧ ಈ ಕಾರ್ಯವನ್ನು ಪ್ರಾರಂಬಿಸುವದಕ್ಕೆ
ಹೇಗೆ ನಿಮ್ಮಲ್ಲಿ ಸಿದ್ದ ಮನಸ್ಸು ಇತ್ತೋ ಹಾಗೆಯೇ ನಿಮ್ಮ ನಿಮ್ಮ ಶಕ್ತ್ಯಾನುಸಾರವಾಗಿ
ನೆರವೇರಿಸಿರಿ. ೧೨ ಒಬ್ಬನು ಕೊಡುವದಕ್ಕೆ ಮನಸ್ಸುಳ್ಳವನಾಗಿರುವಲ್ಲಿ ಅವನು ತನ್ನಲ್ಲಿ ಇರುವದಕ್ಕೆ
ಅನುಸಾರವಾಗಿ ಕೊಟ್ಟರೆ ಅದು ಸಮರ್ಪಕವಾಗಿರುವದು. ಅವನಿಗೆ ಇಲ್ಲದ್ದನ್ನು ದೇವರು
ಕೇಳಿಕೊಳ್ಳುವದಿಲ್ಲ. ೧೩ ಇತರರಿಗೆ ಕಷ್ಟಪರಿಹಾರವೂ ನಿಮಗೆ ಕಷ್ಟವೂ ಉಂಟಾಗಬೇಕೆಂದು
ನನ್ನ ತಾತ್ಪರ್ಯವಲ್ಲ. ೧೪ ಸಮಾನತ್ವವಿರಬೇಕೆಂಬುದೇ ನನ್ನ ತಾತ್ಪರ್ಯ. ಸದ್ಯಕ್ಕೆ ನಿಮ್ಮ ಸಮೃದ್ದಿಯು
ಅವರ ಕೊರತೆಯನ್ನು ನೀಗಿಸುತ್ತದೆ. ಮುಂದೆ ಅವರ ಸಮೃದ್ದಿಯು ನಿಮ್ಮ ಕೊರತೆಯನ್ನು
ನೀಗಿಸುವದು. ಹೀಗೆ ಸಮಾವತ್ವವುಂಟಾಗುವದು. ೧೫ ಬಹಳ ಕೂಡಿಸಿದವನಿಗೆ ಏನೂ
ಹೆಚ್ಚಾಗಲಿಲ್ಲ. ಸ್ವಲ್ಪವಾಗಿ ಕೂಡಿಸಿದವನಿಗೆ ಏನೂ ಕಡಿಮೆಯಾಗಲಿಲ್ಲ. ಎಂದು ಶಾಸ್ತ್ರದಲ್ಲಿ
ಬರೆದಿರುವ ಪ್ರಕಾರವಾಗುವದು.

### ಧರ್ಮ ದ್ರವ್ಯವನ್ನು ಕೂಡಿಸುವದಕ್ಕೆ ಪೌಲನು ಯೋಗ್ಯವಾದ ಕೆಲವು ಪುರುಷರನ್ನು ಕೊರಿಂಥಕ್ಕೆ ಕಳುಹಿಸಿದ್ದು.

೧೬ ನಿಮ್ಮ ವಿಷಯವಾಗಿ ನನಗಿರುವ ಹಿತ ಚಿಂತನೆಯನ್ನು ದೇವರು ತೀತನ ಹೃದಯದಲ್ಲಿಯೂ
ಹುಟ್ಟಿಸಿದಕ್ಕಾಗಿ ಆತನಿಗೆ ಸ್ತ್ರೋತ್ರವಾಗಲಿ. ೧೭ ಅವನು ನಿಮ್ಮ ಬಳಗೆ ಹೋಗಬೇಕೆಂದು
ನಾವು ಕೇಳಿಕೊಂಡಾಗ ಅವನು ಒಪ್ಪಿದನಲ್ಲದೆ ಅತ್ಯಾಸಕ್ತನಾಗಿದ್ದು ತನ್ನಷ್ಟಕ್ಕೆ ತಾನೇ ನಿಮ್ಮ
ಬಳಿಗೆ ಬರುವದಕ್ಕೆ ಹೊರಟಿದ್ದಾನೆ. ೧೮ ಅವನ ಜೊತೆಯಲ್ಲಿ ಮತ್ತೊಬ್ಬ ಸಹೋದರನು
ಕಳುಹಿಸಿದ್ದೇವೆ. ಈ ಸಹೋದರನನ್ನು ಸುವಾರ್ತಾ ಸೇವೆಯಲ್ಲಿ ಎಲ್ಲಾ ಸಭೆಗಳೊಳಗೆ
ಕೀರ್ತಿಪಡಕೊಂಡವನಾಗಿದ್ದಾನೆ. ೧೯ ಇದು ಮಾತ್ರವಲ್ಲದೆ ನಾವು ನಡಿಸುವ ಧರ್ಮಕಾರ್ಯ
ಸಂಭಂದವಾಗಿ ಸಭೆಗಳವರು ಇತನನ್ನು ನಮ್ಮ ಸಂಗಡ ಪ್ರಮಾಣಮಾಡುವಂತೆ ಗೊತ್ತುಮಾಡದ್ದಾರೆ
ಅವರು ಹೀಗೆ ಮಾಡಿದ್ದರಿಂದ ಕರ್ತನಿಗೆ ಘನವೂ ನಮ್ಮಲ್ಲಿ ಸಿದ್ದ ಮನಸ್ಸೂ ಉಂಟಾಗುವದು.
೨೦ ನಾವು ಪಾರುಪತ್ಯ ಮಾಡುವ ಈ ದ್ರವ್ಯಸಂಚಯದ ವಿಷಯದಲ್ಲಿ ಒಬ್ಬರೂ ನಮ್ಮ ಮೇಲೆ
ತಪ್ಪುಹೊರಿಸುವದಕ್ಕೆ ಆಸ್ಪದವಿರಬಾರದು. ೨೧ ಯಾಕಂದರೆ ಕರ್ತನ ದೃಷ್ಟಿಯಲ್ಲಿ ಮಾತ್ರವಲ್ಲದೆ
ಮನುಷ್ಯರ ದೃಷ್ಟಿಯೂ ಗೌರವವಾದದ್ದನ್ನು ಯೋಚನೆಗೆ ತಂದುಕೊಳ್ಳುವವರಾಗಿದ್ದೇವೆ.
೨೨ ಇವರಿಬ್ಬರ ಸಂಗಡ ನಮ್ಮ ಸಹೋದರರಲ್ಲಿ ಮತ್ತೊಬ್ಬನನ್ನು ಕಳುಹಿಸಿದ್ದೇವೆ. ನಾವು
ಅನೇಕ ಸಮಯದಲ್ಲಿಯೂ ಅನೇಕ ಕಾರ್ಯಗಳಲ್ಲಿಯೂ ಅವನನ್ನು ಪರೀಕ್ಷಿಸಿ ಆಸಕ್ತನೆಂದು
ತಿಳುಕೊಂಡಿದ್ದೇವೆ. ಈಗಲಾದರೂ ಅವನು ನಿಮ್ಮಲ್ಲಿಟ್ಟಿರುವ ವಶೇಷ ಭರವಸದಿಂದ ಇನ್ನೂ
ಬಹಳ ಬಹು ಹೆಚ್ಚಾಗಿ ಆಸಕ್ತಿಯುಳ್ಳವನಾಗಿದ್ದಾನೆ. ೨೩ ತೀತನು ಕುರಿತು ಕೇಳುತ್ತೀರೋ ?
ಅವನು ನನ್ನ ಪಾಲುಗರನೂ ನಿಮ್ಮ ಪ್ರಯೋಜನಕ್ಕಾಗಿ ನನಗೆ ಸಹಕಾರಿಯೂ ಆಗಿದ್ದಾನೆ.
ಆ ಸಹೋದರರನ್ನು ಕುರಿತು ಕೇಳುತ್ತೀರೋ? ಅವರು ಸಭೆಗಳಿಂದ ಕಳುಹಿಸಲ್ಪಟ್ಟವರೂ
ಕ್ರಿಸ್ತನ ಮಹಿಮೆಯನ್ನು ಪ್ರಕಾಶಪಡಿಸುವವರೂ ಆಗಿದ್ದರೆ. ೨೪ ಆದಕಾರಣ ನಿಮ್ಮ ಪ್ರೀತಿಯು
ಯತಾರ್ಥವಾದದ್ದೆಂಬದನ್ನು ನಿಮ್ಮನ್ನು ನಾವು ಹೊಗಳಿದ್ದು ನ್ಯಾಯವೆಂಬದನ್ನೂ ಇವರಿಗೂ
ಸಭೆಗಳಿಗೂ ತೋರಿಸಿಕೊಡಿರಿ.

೯ ೧ ದೇವಜನರಿಗೋಸ್ಕರ ನಡೆಯುವ ಸಹಾಯ ಕಾರ್ಯವನ್ನು ಕುರಿತು ನಿಮಗೆ
ಬರೆಯುವದಕ್ಕೆ ಅವಶ್ಯವಿಲ್ಲ. ೨ ನಿಮ್ಮ ಮನಸ್ಸು ಸಿದ್ಧವಾಗಿದೆಯೇ ಎಂಬುದು ನನಗೆ
ಗೊತ್ತುಂಟು. ಒಂದು ವರ್ಷದ ಹಿಂದೆ ಅಕಾಯದವರು ಸಹಾಯಮಾಡುವದಕ್ಕೆ ಸಿದ್ಧವಾಗಿದ್ದರೆಂದು
ಮಕೆದೋನ್ಯದವರ ಮುಂದೆ ನಿಮ್ಮನ್ನು ಹೊಗಳುತ್ತಾ ಇದ್ದೇನೆ. ಮತ್ತು ನಿಮ್ಮ ಆಸಕ್ತಿಯು ಅವರಲ್ಲಿ
ಬಹು ಜನರನ್ನು ಪ್ರೇರೇಪಿಸಿತು. ೩ ಆದರೂ ನಾವು ನಿಮ್ಮನ್ನು ಹೊಗಳಿದ್ದು ನಿರಾದಾರವಾಗದೆ
ನಾನು ಹೇಳಿದ ಪ್ರಕಾರವೇ ನೀವು ಸಿದ್ಧರಾಗಬೃಕೆಂದು ಆ ಸಹೋದರರರನ್ನು ಕಳುಹಿಸಿದ್ದೇನೆ.
೪ ಸಿದ್ಧವಾಗದಿದ್ದರೆ ಒಂದು ವೇಳೆ ಮಕೆದೋನ್ಯದವರಲ್ಲಿ ಯಾರಾದರೂ ನನ್ನ ಸಂಗಡ ಬಂದು
ನೀವು ಸಿದ್ಧವಾಗಲಿಲ್ಲವೆಂಬುದನ್ನು ಕಾಣುವಾಗ ನಮಗೆ ಇಂಥ ಭರವಸವಿದ್ದದ್ದಕ್ಕೆ ನಾವು
ನಾಚಿಕೆ ಪಡಬೇಕೆಆದೀತು. ನಿಮಗೂ ನಾಚಿಕೆಯಾಗುವದೆಂದು ನಾವು ಬೇರೆ ಹೇಳಬೇಕೇ.
೫ ಹೀಗಿರಲಾಗಿ ಈ ಸಹೋದರರು ಮುಂದಾಗಿ ನಿಮ್ಮ ಬಳಿಗೆ ಬಂದು ಕೊಡುತ್ತೇವೆಂದು
ನೀವು ಮೊದಲು ಹೇಳಿದ ಧರ್ಮದ್ರವ್ಯವನ್ನು ಸಿದ್ಧಪಡಿಸಬೇಕೆಂಬದಾಗಿ ಇವರನ್ನು
ಬೇಡಿಕೊಳ್ಳುವದು ಅವಶ್ಯವೆಂದು ನನಗೆ ತೋಚಿತು. ಹೀಗೆ ಆ ಹಣವು ಸುಲಿಗೆಯಂತೆ ಬಾರದೆ
ಧರ್ಮಾರ್ಥವಾಗಿಯೇ ಸಿದ್ಧವಾಗುವದು.

### ಪೌಲನು ಕೊರಿಂಥ ಸಭೆಯವರನ್ನು ಉದಾರವಾಗಿ ಕೊಡುವದಕ್ಕೆ ಪ್ರೇರೇಪಿಸುವದು.

೬ ಆದರೆ ಸ್ವಲ್ಪವಾಗಿ ಬಿತ್ತುವವನು ಪೈರನ್ನು ಸ್ವಲ್ಪವಾಗಿ ಕೊಯ್ಯುವನು. ಹೆಚ್ಚಾಗಿ ಬಿತ್ತುವವನು
ಹೆಚ್ಚಾಗಿ ಕೊಯ್ಯುವನು ಎಂದು ತಿಳುಕೊಳ್ಳಿರಿ. ೭ ಪ್ರತಿಯೊಬ್ಬ ತನ್ನ ತನ್ನ ಹೃದಯದಲ್ಲಿ
ನಿರ್ಣಯಿಸಿಕೊಂಡ ಪ್ರಕಾರ ಕೊಡಲಿ. ದುಃಖದಿಂದಾಗಲಿ ಬಲತ್ಕಾರದಿಂದಾಗಲಿ ಯಾರೂ
ಕೊಡಬಾರದು. ಯಾಕಂದರೆ ಸಂತೋಷವಾಗಿ ಕೊಡುವವನ ಮೇಲೆ ದೇವರಿಗೆ ಪ್ರೀತಿಯುಂಟು.
೮ ದೇವರು ಸಕಲ ವಿಧವಾದ ದಾನಗಳನ್ನು ನಿಮಗೆ ದಾರಾಳವಾಗಿ ಅನುಗ್ರಹಿಸುವದಕ್ಕೆ
ಶಕ್ತನಾದ್ದರಿಂದ ನೀವು ಯಾವಾಗಲೂ ಎಲ್ಲಾ ವಿಷಯಗಳಲ್ಲಿ ಪರಿಪೂರ್ಣತೆಯುಳ್ಳವರಾಗಿ
ಸಕಲ ಸತ್ಕಾರ್ಯಗಳನ್ನು ಹೇರಳವಾಗಿ ಮಾಡುವವರಾಗಿರಬೇಕು. ೯ ಉಪಕಾರಿಯ ವಿಷಯದಲ್ಲಿ
– ಅವನು ಬಡವರಿಗೆ ದಾರಾಳವಾಗಿ ಕೊಟ್ಟನು. ಅವನ ನೀತಿಯ ಫಲವು ಸದಾಕಾಲವೂ
ಇರುವದು. ಎಂದು ಶಾಸ್ತ್ರದಲ್ಲಿ ಬರೆದಿದೆಯಲ್ಲಾ. ೧೦ ಬಿತ್ತುವವನಿಗೆ ಬೀಜವನ್ನೂ
ಉಣ್ಣುವವನಿಗೆ ಆಹಾರವನ್ನೂ ಕೊಡುವಾತನು ನಿಮಗೂ ಬಿತ್ತುವದಕ್ಕೆ ಬೀಜವನ್ನೂ
ಕೊಟ್ಟು ಹೆಚ್ಚಿಸಿ ನಿಮ್ಮ ಧರ್ಮಕಾರ್ಯಗಳಿಂದಾಗುವ ಫಲಗಳನ್ನು ವೃದ್ಧಿಪಡಿಸುವನು.
೧೧ ಹೀಗೆ ನೀವು ಎಲ್ಲಾ ವಿಷಯಗಳಲ್ಲಿ ಐಶ್ವರ್ಯವಂತರಾಗಿದ್ದು ಉಧಾರವಾಗಿ ಕೊಡ
ಶಕ್ತರಾಗುವಿರಿ. ಇದಲ್ಲದೆ ನಿಮ್ಮ ದಾನಗಳು ನಮ್ಮ ಕೈಯಿಂದ ಮತ್ತೊಬ್ಬರಿಗೆ ಸೇರಿದಾಗ
ದೇವರಿಗೆ ಕೃತಜ್ಞತಾಸ್ತುತಿಯನ್ನುಂಟುಮಾಡುವದು. ೧೨ ಹೇಗೆಂದರೆ ನೀವು ನಡಿಸುವ ಈ
ಧರ್ಮಕಾರ್ಯವು ದೇವಜನರ ಕೊರತೆಗಳನ್ನು ನೀಗುವದು. ಮಾತ್ರವಲ್ಲದೆ ಅನೇಕರಿಂದ
ದೇವರಿಗೆ ಕೃತಜ್ಞತಾಸ್ತುತಿಯನ್ನು ಹುಟ್ಟಿಸುವದು. ೧೩ ಈ ಸಹಾಯದಿಂದ ತೋರಿಬಂದ ನಿಮ್ಮ
ಯೋಗ್ಯ ಭಾವವನ್ನು ಅವರು ನೋಡುವಾಗ ನೀವು ಮಾಡಿದ ಪ್ರತಿಜ್ಞೆಗೆ ಸರಿಯಾಗಿ ಕ್ರಿಸ್ತನ
ಸುವಾರ್ತೆಯನ್ನು ಅನುಸರಿದ್ದರಿಂದಲೂ ತಮಗೂ ಎಲ್ಲರಗೂ ನೀವು ಉದಾರವಾಗಿ ಸಹಾಯ
ಮಾಡಿದ್ದರಿಂದಲೂ ದೇವರನ್ನು ಕೊಂಡಾಡುವರು. ೧೪ ಇದಲ್ಲದೆ ನಿಮಗೋಸ್ಕರ ವಿಜ್ಞಾಪನೆ ಮಾಡಿ
ದೇವರ ಅತಿಶಯವಾದ ಕೃಪೆಯು ನಿಮ್ಮಲ್ಲಿ ಇರುವದರಿಂದ ನಿಮ್ಮ ಪರಿಚಿತಿಮಾಡಬೇಕೆಂದು
ಕೋರುವರು. ೧೫ ವರ್ಣಿಸಲಶಕ್ಯವಾದ ದೇವರ ವರಕ್ಕಾಗಿ ಆತನಿಗೆ ಸ್ತೋತ್ರ.

### ತನಗೆ ಅಧಿಕಾರವಿಲ್ಲವೆಂದು ವಿರೋಧಿಗಳು ಹೇಳಿದ ಮಾತಿಗೆ ಪೌಲನು ಕೊಡುವ ಉತ್ತರ

(೧೦. ೧ -೧೮ . ೧೦)

ಅನಗೆ ಅಧಿಕಾರ ಉಂಟೆಂಬುದನ್ನೂ ಅದು ಎಂಥ ಅಧಿಕಾವೆಂಬುದನ್ನೂ ಕೊರಿಂಥಕ್ಕೆ
ಬಂದಗ ತೋರಿಸುವೆನೆಂದು ಪೌಲನು ಖಂಡಿತವಾಗಿ ಹೇಳುವದು.

೧೦ ೧ ಪೌಲನು ನಮ್ಮೆದುರಿನಲ್ಲಿರುವಾಗ ದೀನನಾಗಿ ನಡೆದುಕೊಳ್ಳುವನೂ ದೂರದಲ್ಲಿರುವಾಗ
ನಮ್ಮನ್ನು ಕುರಿತು ದಿಟ್ಟತನ ತೋರಿಸುವವನೂ ಆಗಿದ್ದಾನೆ. ಎಂದು ಹೇಳುವವರು
ನಿಮ್ಮಲ್ಲಿದ್ದಾರಲ್ಲಾ ಆ ಪೌಲನೆಂಬ ನಾನು ಕ್ರಿಸ್ತನ ಶಾಂತ ಮನಸ್ಸನ್ನೂ ಸಾತ್ವಿಕತ್ವವನ್ನೂ
ನೆನಪಿಗೆ ತಂದು ಕೊಂಡು ನಿಮಗೆ ಖಂಡಿತವಾಗಿ ಹೇಳುವದೇನೆಂದರೆ ೨ ಯಾರು

ನಮ್ಮನ್ನು ಲೋಕಾವುಸಾರಿಗಳೆಂದು ಎಣಿಸುತ್ತಾರೋ ಅವರಿಗೆ ದಿಟ್ಟವಾದ ಧೈರ್ಯವನ್ನು
ತೋರಿಸಬೇಕೆಂದು ಯೋಚಿಸುತ್ತಾ ಇದ್ದೇನೆ. ನಾವು ನಿಮ್ಮಲ್ಲಿಗೆ ಬಂದಿರುವಾಗ ಅಂಥ
ದಿಟ್ಟತನವನ್ನು ತೋರಿಸುವದಕ್ಕೆ ಅವಕಾಶವುಂಟಾಗಬಾರದೆಂದು ನಿಮ್ಮನ್ನು ಬೇಡಿಕೊಳ್ಳುತ್ತೇನೆ.
೩ ನಾವು ಲೋಕದಲ್ಲಿದ್ದರೂ ಲೋಕಾನುಸಾರವಾಗಿ ಯುದ್ಧಮಾಡುವವರಲ್ಲ. ೪ ನಾವು
ಉಪಯೋಗಿಸುವ ಆಯುಧಗಳು ಲೋಕಸಂಭಂದವಾದ ಆಯುಧಗಳಲ್ಲ. ಅವು ದೇವರ
ಎಣಿಕೆಯಲ್ಲಿ ಬಲವಾಗಿದ್ದು ಕೋಟೆಗಳನ್ನು ಕೆಡವಿಹಾಕುವಂಥವುಗಳಾಗಿವೆ. ೫ ನಾವು
ವಿತರ್ಕಗಳನ್ನೂ ದೇವಜ್ಞಾನವನ್ನು ವಿರೋಧಿಸುವದಕ್ಕೆ ಏರಿಸಲ್ಪಟ್ಟಿರುವ ಉನ್ನತವಾದ ಎಲ್ಲಾ
ಕೊತ್ತಲಗಳನ್ನು ಕೆಡವಿ ಹಾಕಿ ಎಲ್ಲಾ ಯೋಚನೆಗಳನ್ನು ಕ್ರಿಸ್ತನಿಗೆ ವಿಧೇಯರಾಗುವಂತೆ
ಸೆರೆಹಿಡಿದು, ೬ ನಿಮ್ಮ ವಿಧೇಯತ್ವವು ಪರಿಪೂರ್ಣವಾದ ಮೇಲೆ ಎಲ್ಲಾ ಅವಿಧೇಯತ್ವಕ್ಕೆ ಶಿಕ್ಷೆ
ಮಾಡುವದಕ್ಕೆ ಸಿದ್ಧರಾಗಿದ್ದೇವೆ.
೭ ನೀವು ಮೂಖದ ಮುಂದೆ ಇರುವಂಥದ್ದನ್ನು ನೋಡಿರಿ. ಯಾವನಾದರು ತನ್ನನ್ನು
ಕ್ರಿಸ್ತನವನೆಂದು ನಂಬಿಕೊಂಡರೆ ಅವನು ತಿರಿಗಿ ಆಲೋಚನೆಮಾಡಿಕೊಂಡು ತಾನು ಹೇಗೆ
ಕ್ರಿಸ್ತನವನೋ ಹಾಗೆ ನಾವೂ ಕ್ರಿಸ್ತನವನೆಂದು ತಿಳಿದುಕೊಳ್ಳಲಿ. ೮ ನಮಗಿರುವ ಅಧಿಕಾರವನ್ನು
ಕುರಿತು ನಾವು ಒಂದು ವೇಳೆ ಹೆಚ್ಚಾಗಿ ಹೊಗಳಿಕೊಂಡರೂ ಹಾಗೆ ಹೊಗಳಿಕೊಳ್ಳುವದರಲ್ಲಿ
ನಾಚಿಕೆಪಡುವದಕ್ಕೆ ಕಾರಣವಾಗುವದಿಲ್ಲ. ಆದರೆ ನಿಮ್ಮನ್ನು ಕೆಡವಿಹಾಕುವದಕ್ಕಲ್ಲ
ಕಟ್ಟುವದಕ್ಕಾಗಿಯೇ ಕರ್ತನು ಈ ಅಧಿಕಾರವನ್ನು ನಮಗೆ ಕೊಟ್ಟನು. ೯ ಪತ್ರಿಕೆಗಳಿಂದ
ನಿಮ್ಮನ್ನು ಹೆದರಿಸುವವನಾಗಿ ಕಾಣಿಸಿಕೊಳ್ಳುವದಕ್ಕೆ ನನಗೆ ಮನಸ್ಸಿಲ್ಲ. ೧೦ ಅವನಿಂದ ಬಂದ
ಪತ್ರಿಕೆಗಳು ಗೌರವವಾದದವುಗಳೂ ಬಲವುಳ್ಳವುಗಳೂ ಆಗಿವೆ. ಅವನು ಸಾಕ್ಷಾತ್ತಾಗಿ ಬಂದರೆ
ಅವನು ನಿರ್ಬಲನು ಅವನ ಮಾತು ಗಣನೆಗೆ ಬಾರದ್ದು ಅನ್ನುತ್ತಾರೆ. ೧೧ ಅಂಥವರು – ನಾವು
ದೂರದಲ್ಲಿರುವಾಗ ಪತ್ರಿಕೆಗಳ ಮೂಲಕ ಮಾತಿನಲ್ಲಿ ಎಂಥವರಾಗಿದ್ದೇವೋ ಹತ್ತಿರದಲ್ಲಿರುವಾಗ
ಕಾರ್ಯದಲ್ಲಿಯೂ ಅಂಥವರಾಗಿಯೇ ಇದ್ದೇವೆಂದು ತಿಳುಕೊಳ್ಳಲಿ.

ಮತ್ತೊಬ್ಬರು ಸುವಾರ್ತೆ ಸಾರಿದ ಕಡೆಯಲ್ಲಿ ತಾನು ಸಾರುವವನಲ್ಲವೆಂದು ಪೌಲನು ಹೇಳುವನು.

೧೨ ತಮ್ಮನ್ನು ತಾವೇ ಹೊಗಳಿಕೊಳ್ಳುವ ಕೆಲವರಲ್ಲಿ ನಮ್ಮನ್ನು ಸೇರಿಸಿಕೊಳ್ಳುವದಕ್ಕಾಗಿ
ಅವರಿಗೆ ಹೋಲಿಸುವದಕ್ಕಾಗಲಿ ನಮಗೆ ಧೈರ್ಯ ಸಾಲದು ಅವರಂತೂ ತಮ್ಮತಮ್ಮೊಳಗೆ
ತಮ್ಮನ್ನು ಅಳತೆಮಾಡಿಕೊಂಡು ತಮತಮಗೆ ಹೋಲಿಸಿಕೊಂಡು ವಿವೇಕವಿಲ್ಲದವರಾಗಿದ್ದಾರೆ.
೧೩ ನಾವಾದರೂ ಮೇರೆದಪ್ಪಿ ಹೊಗಳಿಕೊಳ್ಳದೇ ದೇವರು ನಮಗೆ ನೇಮಿಸಿದಂಥ
ಮೇರೆಯೊಳಗಿದ್ದು ಹೊಗಳಿಕೊಳ್ಳುತ್ತೇವೆ. ಈ ಮೇರೆಯೊಳಗಿದ್ದು ನಿಮ್ಮ ಪರ್ಯಾಂತರಕ್ಕೂ
ಬಂದಿದ್ದೇವೆ. ೧೪ ನಾವು ಕ್ರಿಸ್ತನ ಸುವಾರ್ತೆಯನ್ನು ಸಾರುತ್ತಾ ಇತರರಿಗಿಂತ ಮೊದಲು
ನಿಮ್ಮ ಬಳಿಗೆ ಬಂದದ್ದರಿಂದ ನಿಮ್ಮ ಮೇಲೆ ಅಧಿಕಾರವಿಲ್ಲದವರಂತೆ ಮೇರೆಯನ್ನು
ಅತಿಕ್ರಮಿಸಿದವರಲ್ಲ. ೧೫ ನಾವು ಮೇರೆದಪ್ಪಿ ಮತ್ತೊಬ್ಬರ ಪ್ರಯಾಸದ ಫಲಗಳನ್ನು ತಕ್ಕೊಂಡು ಇವು
ನಮ್ಮವು ಎಂದು ಹಿಗ್ಗುವವರಲ್ಲ. ಆದರೆ ನಿಮ್ಮ ನಂಬಿಕೆಯು ಹೆಚ್ಚಿದ ಹಾಗೆಲ್ಲಾ ನಿಮ್ಮ ಮೂಲಕ
ನಮ್ಮ ಮೇರೆಯೊಳಗೆ ಇನ್ನೂ ಅಭಿವೃದ್ಧಿಹೊಂದಿ ೧೬ ನಿಮಗೆ ಆಚೆಯಿರುವ ಸೀಮೆಗಳಲ್ಲಿ
ಸುವಾರ್ತೆಯನ್ನು ಸಾರುವೆವೆಂಬ ನಿರೀಕ್ಷೆ ನಮುಗುಂಟು. ಮತ್ತೊಬ್ಬರ ಮೇರೆಯಲ್ಲಿ ಸಿದ್ಧವಾಗಿ
ನಮಗೆ ಸಿಕ್ಕಿದ ಫಲವನ್ನು ಕುರಿತು ನಾವು ಹೆಚ್ಚಳಪಡುವದಿಲ್ಲ. ೧೭ ಹೆಚ್ಚಳಪಡುವವನು
ಕರ್ತನಲ್ಲಿಯೇ ಹೆಚ್ಚಳಪಡಲಿ. ೧೮ ತನ್ನನ್ನು ತಾನೇ ಹೊಗಳಿಕೊಳ್ಳುವವನು ಯೋಗ್ಯನಲ್ಲ. ಕರ್ತನು
ಯಾರನ್ನು ಹೊಗಳುತ್ತಾನೋ ಅವನೇ ಯೋಗ್ಯನು.

ತಾನು ಸಾರಿದ ಕ್ರಿಸ್ತನನ್ನುಕೊರಿಂಥದವರು ಬಿಟ್ಟು ಬೇರೊಂದು
ಬೋಧನೆಗೆ ಕಿವಿಗೊಡಬಾರದೆಂದು ಪೌಲನು ಹೇಳುವದು.

೧೧ ೧ ನಾನು ನನ್ನನ್ನು ಹೊಗಳಿಕೊಳ್ಳುವದರಲ್ಲಿ ಸ್ವಲ್ಪ ಬುದ್ಧಿಹೀನತೆಯಿಂದ ಮಾತಾಡುತ್ತೇನೆ.
ನೀವು ಅದನ್ನು ಸಹಿಸಿಕೊಳ್ಳುತ್ತಿರೇನೋ. ನನ್ನನ್ನು ಸಹಿಸಿಕೊಳ್ಳಬೇಕೆಂದು
ನಿಮ್ಮನ್ನು ಬೇಡಿಕೊಳ್ಳುತ್ತೇನೆ. ೨ ಯಾಕಂದರೆ ದೇವರಲ್ಲಿರುವಂಥ ಚಿಂತೆಯಿಂದಲೇ
ನಾನು ನಿಮ್ಮ ವಿಷಯದಲ್ಲಿ ಚಿಂತಿಸುತ್ತೇನೆ. ನಿಮ್ಮನ್ನು ಕ್ರಿಸ್ತನೆಂಬ ಒಬ್ಬನೇ ಪುರುಷನಿಗೆ
ಶುದ್ಧ ಕನ್ನೆಯಾಗಿ ಒಪ್ಪಿಸಬೇಕೆಂದು ನಿಮ್ಮನ್ನು ಆತನಿಗೆ ನಿಶ್ಚಯಮಾಡಿಸಿದ್ದೇನಲ್ಲ.
೩ ಆದರೆ ಹೇಗೆ ಹವ್ವಳು ಸರ್ಪದ ಕುಯುಕ್ತಿಗೆ ಭಯಬಿದ್ದು ಮೋಸಹೋದಳೋ ಹಾಗೆ

ನಿಮ್ಮ ಮನಸ್ಸು ಕ್ರಿಸ್ತನ ವಿಷಯದಲ್ಲಿರಬೇಕಾದ ಯಥಾರ್ಥತ್ವವನ್ನೂ ಪಾತಿವ್ರತ್ಯವನ್ನೂ ಬಿಟ್ಟು
ಕೆಟ್ಟುಹೋದೀತೆಂದು ನನಗೆ ಭಯವುಂಟು. ೪ ಯಾಕಂದರೆ ನಾವು ಪ್ರಸಿದ್ಧಿಪಡಿಸದಿದ್ದ
ಮತ್ತೊಬ್ಬ ಯೇಸುವನ್ನು ನಿಮ್ಮ ಬಳಿಗೆ ಬರುವವರು ಪ್ರಕಟಿಸುವಾಗಲೂ ನೀವು ಹೊಂದಿದೆ
ಇದ್ದ ಬೇರೆ ವಿಧವಾದ ಆತ್ಮಪ್ರೇರಣೆಯನ್ನು ಹೊಂದುವಾಗಲೂ ಅವಲಂಬಿಸದೆ ಇದ್ದ
ಬರೊಂದು ಸುವಾರ್ತೆಯನ್ನು ಕೇಳುವಾಗಲೂ ನೀವು ಸಹಿಸಿಕೊಳ್ಳುತ್ತಿರುವದು ಬಹು ಆಶ್ಚರ್ಯ.
೫ ಅತಿಶ್ರೇಷ್ಠರಾದ ಅಪೊಸ್ತಲರು ಅನ್ನಿಸಿಕೊಳ್ಳುವ ಅವರಿಗಿಂತ ನಾನು ಒಂದರಲ್ಲಾದರೂ
ಕಡಿಮೆಯಾದವನಲ್ಲವೆಂದು ಎಣಿಸುತ್ತೇನೆ ೬ ನಾನು ವಾಕ್ಚಾತುರ್ಯದಲ್ಲಿ ನಿಪುಣನಲ್ಲದಿದ್ದರೂ
ಜ್ಞಾನದಲ್ಲಿ ನಿಪುಣನಾಗಿದ್ದೇನೆ. ಇದನ್ನು ಎಲ್ಲಾ ಕಾಎಯಗಳಲ್ಲಿ ಎಲ್ಲರ ಮುಂದೆ ನಿಮ್ಮ
ಪ್ರಯೋಜನಕ್ಕಾಗಿ ತೋರ್ಪಡಿಸಿದ್ದೇವೆ.

### ತಾನು ಕೊರಿಂಥದ ಸಭೆಯಿಂದ ಹಣ ಸಹಾಯ ತೆಗೆದುಕೊಳ್ಳದೆ ಹೋದದ್ದು. ದೋಷವೆಣಿಸಕೂಡದೆಂದು ಪೌಲನು ಹೇಳುವದು.

೭ ಏನು ನೀವು ಅಬಿವೃದ್ಧಿಹೊಂದಬೇಕೆಂದು ನನ್ನನ್ನು ನಾನೇ ತಗ್ಗಿಸಿಕೊಂಡು ದೇವರ
ಸುವಾರ್ತೆಯನ್ನು ನಿಮಗೆ ಉಚಿಥಾರ್ಥವಾಗಿ ಸಾರಿದ್ದು ಪಾಪಕೃತ್ಯವೋ ೮ ನಿಮ್ಮ ಸೇವೆ
ಮಾಡುವದಕ್ಕೋಸ್ಕರ ನಾನು ಇತರ ಸಭೆಗಳಿಂದ ಸಂಬಳ ತೆಗೆದುಕೊಂಡು ಅವುಗಳನ್ನು
ಸುಲುಕೊಂಡೆನು. ೯ ನಾನು ನಿಮ್ಮಲ್ಲಿದ್ದಾಗ ಖರ್ಚಿಗೆ ಏನೂ ಇಲ್ಲದ ಸಮಯದಲ್ಲಿ ಯಾರ
ಮೇಲೆಯೂ ಬಾರ ಹಾಕಲಿಲ್ಲ. ಮಕೆದೋನ್ಯದಿಂದ ಬಂದ ಸಹೋದರರು ನನಗೆ
ಬೇಕಿದುದ್ದಿಲ್ಲವನ್ನೂ ಕೊಟ್ಟರು. ನಾನು ನಿಮಗೆ ಯಾವುದರಲ್ಲಿಯೂ ಬಾರವಾಗಿರಬಾರದೆಂದು
ನೋಡಿಕೊಳ್ಳುತ್ತಿದ್ದೇನು. ಇನ್ನು ಮೇಲೆಯೂ ನೋಡಿಕೊಳ್ಳುವೆನು. ೧೦ ಈ ನನ್ನ
ಹೊಗಳಿಕೆಯನ್ನು ಅಖಾಯದ ಪ್ರಾಂತ್ಯಗಳಲ್ಲಿ ಒಬ್ಬರೂ ನಿಲ್ಲಿಸಲಾರರೆಂದು ಕ್ರಿಸ್ತನ ಮುಂದೆ
ಸತ್ಯವಾಗಿ ಹೇಳುತ್ತೇನೆ. ೧೧ ಯಾಕೆ ನಿಮ್ಮಿಂದ ಏನೂ ತೆಗೆದುಕೊಳ್ಳುವದಿಲ್ಲ ನಿಮ್ಮ
ಮೇಲೆ ಪ್ರೀತಿ ಇಲ್ಲದ್ದರಿಂದಲೋ ದೇವರೆ ಬಲ್ಲ. ೧೨ ನನ್ನನ್ನು ನಿಂದಿಸುವದಕ್ಕೆ ಆಸ್ಪದವನ್ನು
ಹುಡುಕುವವರಿಗೆ ಯಾವ ಆಸ್ಪದವೂ ಸಿಕ್ಕದಂತೆ ನಾನು ಮಾಡುವದನ್ನು ಇನ್ನು ಮುಂದೆ
ಮಾಡುವೆನು. ಅವರು ಯಾವುದರಲ್ಲಿ ಹಿಗ್ಗುತ್ತಾರೋ ಅದರಲ್ಲಿ ನಮ್ಮಂತೆಯೇ ನಡೆಯುವವರಾಗಿ
ಕಂಡು ಬರಲಿ. ೧೩ ಆದರೆ ಅಂಥವರು ಸುಳ್ಳು ಅಪೊಸ್ತಲರೂ ಮೋಸಗಾರರದ ಕೆಲಸದವರೂ
ಕ್ರಿಸ್ತನ ಅಪೊಸ್ತಲರಾಗಿ ಕಾಣಿಸುವದಕ್ಕೆ ವೇಷಹಾಕಿಕೊಳ್ಳುವವರೂ ಆಗಿದ್ದಾರೆ. ೧೪ ಇದೇನೂ
ಆಶ್ಚರ್ಯವಲ್ಲ. ಸೈತಾನನು ತಾನೇ ಪ್ರಕಾಶ ರೂಪವುಳ್ಳ ದೇವದೂತನ ವೇಷವನ್ನು ಹಾಕಿಕೊಳ್ಳುವಾಗ,
೧೫ ಅವನ ಸೇವಕರು ಸಹ ನೀತಿಗೆ ಸೇವಕರಾಗಿ ಕಾಣಿಸುವದಕ್ಕೆ ವೇಷಹಾಕಿಕೊಳ್ಳುವದು
ದೊಡ್ಡದಲ್ಲ. ಅವರ ಅಂತ್ಯಾವಸ್ಥೆಯು ಅವರ ಕೃತ್ಯಗಳಿಗೆ ತಕ್ಕ ಹಾಗೆ ಆಗುವದು.

### ತಾನು ಸೇವೆಯಲ್ಲಿ ಪಟ್ಟ ಶ್ರಮೆಯೂ ಕ್ರಿಸ್ತನಿಂದ ಹೊಂದಿದ ದರ್ಶನಗಳೂ ಬಹು ಹೆಚ್ಚೆಂದು ಪೌಲನು ಹೇಳುವದು.

೧೬ ನನ್ನನ್ನು ಬುದ್ಧಿಹೀನನೆಂತ ಯಾರೂ ನೆನಸಬಾರದೆಂದು ತಿರಿಗಿ ಹೇಳುತ್ತೇನೆ. ಹಾಗೆ
ನೆನಸಿದರೂ ನನ್ನನ್ನು ಬುದ್ಧಿಹೀನನಾಗಿಯಾದರೂ ಸೇರಿಸಿಕೊಳ್ಳಿರಿ. ಯಾಕಂದರೆ ನಾನು ಸಹ
ಅಲ್ಪ ಸ್ವಲ್ಪ ಹೊಗಳಿಕೊಳ್ಳಬೇಕೆಂದಿದ್ದೇನೆ. ೧೭ ನಾನು ಈಗ ಆಡುವ ಮಾತುಗಳನ್ನು ಕರ್ತನನ್ನು
ಅನುಸರಿಸುವವರಾಗಿ ಆಡದೆ ಭರವಸದಿಂದ ತನ್ನನ್ನು ಹೊಗಳಿಕೊಳ್ಳುವ ಬುದ್ಧಿಹೀನನಂತೆ
ಆಡುತ್ತೇನೆ. ೧೮ ಅನೇಕರು ಲೋಕಸಂಭಂದವಾದ ಕಾರ್ಯಗಳಲ್ಲಿ ಹೊಗಳಿಕೊಳ್ಳುವದರಿಂದ
ನಾನೂ ಹೊಗಳಿಕೊಳ್ಳುತ್ತೇನೆ. ೧೯ ನೀವು ಬುದ್ಧಿವಂತರಾಗಿದ್ದು ಬುದ್ಧಿಹೀನರನ್ನು ಸಂತೋಷದಿಂದ
ಸೈಹಿಸಿಕೊಳ್ಳುತ್ತೀರಲ್ಲಾ ೨೦ ಒಬ್ಬನು ನಿಮ್ಮನ್ನು ತನಗೆ ವಶಮಾಡಿಕೊಂಡರೂ ಒಬ್ಬನು
ನಿಮ್ಮನ್ನು ನುಂಗಿಬಿಟ್ಟರೂ ಒಬ್ಬನು ನಿಮ್ಮನ್ನು ಮರಳುಗೊಳಿಸಿ ಹಿಡಿದರೂ ಒಬ್ಬನು ತನ್ನನ್ನು
ಹೆಚ್ಚಿಸಿಕೊಂಡರೂ ಒಬ್ಬನು ನಿಮ್ಮ ಮುಖದ ಮೇಲೆ ಹೊಡೆದರೂ ಸಹಿಸಿಕೊಳ್ಳುತ್ತೀರಲ್ಲಾ.
೨೧ ನಾವು ಬಲವಿಲ್ಲದವರಾಗಿದ್ದೆವೆಂಬಂತೆ ಇದನ್ನು ನನ್ನ ಅವಮಾನಕ್ಕೆ ಹೇಳಿದ್ದರೂ
ಯಾವ ಆಧರದಿಂದ ಯಾವನಾದರೂ ಧೈರ್ಯವಾಗಿ ನಡೆದುಕೊಳ್ಳುತ್ತಾನೋ ಅದರಿಂದಲೇ
ನಾನು ಧೈರ್ಯವುಳ್ಳವನಾಗಿದ್ದೇನೆ. ೨೨ ಇದನ್ನು ಬುದ್ಧಿಹೀನತೆಯಿಂದ ಹೇಳುತ್ತೆನೆ. ಅಬರು
ಇಬ್ರಿಯರೋ. ನಾನೂ ಇಬ್ರಿಯನು. ಅವರು ಇಸ್ರಾಯೇಲ್ಯರೋ ನಾನೂ ಇಸ್ರಾಯೇಲ್ಯನು. ಅವರು
ಅಬ್ರಹಾಮನ ವಂಶದವರೋ ನಾನೂ ಅದೇ ವಂಶದವನು. ೨೩ ಅವರು ಕ್ರಿಸ್ತನ ಸೇವಕರೋ

ಅವರಿಗಿಂತ ನಾನು ಹೆಚ್ಚಾಗಿ ಸೇವೆಮಾಡುವವನಾಗಿದ್ದೇನೆ. ಬುದ್ದಿಸ್ವಾದೀನವಿಲ್ಲದವನಾಗಿ
ಮತಾಡುತ್ತೇನೆ. ಆತನ ಸೇವೆಯಲ್ಲಿ ಅವರಿಗಿಂತ ಹೆಚ್ಚಾಗಿ ಪ್ರಯಾಸಪಟ್ಟೆನು. ಹೆಚ್ಚಾಗಿ
ಸೆರೆಮನೆಯೊಳಗೆ ಬಿದ್ದೆನು. ಮಿತಿಮೀರಿ ಪೆಟ್ಟುಗಳನ್ನು ತಿಂದೆನು. ಅನೇಕ
ಸಾರಿ ಮರಣದ ಬಾಯೊಳಗೆ ಸಿಕ್ಕಿಕೊಂಡೆನು. ೨೪ ಐದು ಸಾರಿ ಯೆಹೂದ್ಯರಿಂದ
ನನಗೆ ಒಂದು ಕಡಿಮೆ ನಾಲ್ವತ್ತು ಏಟುಗಳು ಬಿದ್ದವು. ೨೫ ಮೂರು ಸಾರಿ ಸರಕಾರದವರು
ಚಡಿಗಳಿಂದ ನನ್ನನ್ನು ಹೊಡೆದರು. ಒಂದು ಸಾರಿ ಜನರು ನನ್ನನ್ನು ಕೊಲ್ಲುವದಕ್ಕೆ ಕಲ್ಲೆಸೆದರು.
ಮೂರು ಸಾರಿ ನಾನಿದ್ದ ಹಡಗವು ಒಡೆದು ಹೋಯಿತು. ಒಂದು ರಾತ್ರಿ ಒಂದು ಹಗಲು
ಸಮುದ್ರದ ನೀರಿನಲ್ಲಿ ಕಳೆದೆನು. ೨೬ ಆತನ ಸೇವೆಯಲ್ಲಿ ಎಷ್ಟೋ ಪ್ರಯಾಣಗಳನ್ನು
ಮಾಡಿದೆನು. ನದಿಗಳ ಅಪಾಯಗಳೂ ಕಳ್ಳರ ಅಪಾಯಗಳೂ ಸ್ವಂತ ಜನರಿಂದ ಅಪಾಯಗಳೂ
ಅನ್ಯಜನರಿಂದ ಅಪಾಯಗಳೂ ಪಟ್ಟಣದಲ್ಲಿ ಅಪಾಯಗಳೂ ಕಾಡಿನಲ್ಲಿ ಅಪಾಯಗಳೂ
ಸಮುದ್ರದಲ್ಲಿ ಅಪಾಯಗಳೂ ಸುಳ್ಳು ಸಹೋದರರೊಳಗೆ ಇರುವಾಗ ಅಪಾಯಗಳು ನನಗೆ
ಸಂಭವಿಸಿದವು. ೨೭ ಪ್ರಯಾಸಪರಿಶ್ರಮಗಳಿಂದ ಕೆಲಸ ನಡಿಸಿ ಅನೇಕ ಸಾರಿ ನಿದ್ರೆಗೆಟ್ಟು
ಹಸಿವೆ ಬಾಯರಿಕೆಗಳನ್ನು ಪಟ್ಟು ಅನೇಕ ಸಾರಿ ಉಪವಾಸವಾಗಿಯೂ ಚಳಿಯಲ್ಲಿಯೂ
ವಸ್ತ್ರವಿಲ್ಲದೆಯೂ ಇದ್ದು ಆತನನ್ನು ಸೇವಿಸಿದ್ದೇನೆ. ೨೮ ಇನ್ನು ಬೇರೆ ಸಂಗತಿಗಳಲ್ಲದೆ ಎಲ್ಲಾ
ಸಭೆಗಳ ವಿಷಯವಾಗಿ ಚಿಂತೆಯು ದಿನದಿನ ನನ್ನನ್ನು ಪೀಡಿಸುತ್ತದೆ. ೨೯ ಯಾವನಾದರೂ
ಬಲವಿಲ್ಲದವನಾದರೆ ನಾನೂ ಅವನೊಂದಿಗೆ ಬಲವಿಲ್ಲದವನಾಗದೆ ಇರುವೆನೋ?
ಯಾವನಾದರೂ ಪಾಪದಲ್ಲಿ ಸಿಕ್ಕಿಕೊಂಡರೆ ನಾನು ತಾಪಪಡುವದಿಲ್ಲವೋ?
೩೦ ನಾನು ಹೊಗಳಿಕೊಳ್ಳಬೇಕಾದರೆ ನನ್ನ ಬಲಹೀನತೆಯನ್ನು ತೋರ್ಪಡಿಸುವ ವಿಷಯದಲ್ಲಿ
ಹೊಗಳಿಕೊಳ್ಳುವೆನು. ನಾನು ೩೧ ಸುಳ್ಳಾಡುವದಿಲ್ಲವೆಂದು ಕರ್ತನಾದ ಯೇಸುವಿನ ತಂದೆಯೂ
ನಿರಂತರ ಸ್ತುತಿಹೊಂದತಕ್ಕವನೂ ಆಗಿರುವ ದೇವರೇ ಬಲ್ಲನು. ೩೨ ದಮಸ್ಕದಲ್ಲಿ ಅರಸನಾದ
ಅರೇತನ ಅಧೀನದಲ್ಲಿದ್ದ ಅಧಿಪತಿಯು ನನ್ನನ್ನು ಹಿಡಿಯಬೇಕೆಂದು ದಮಸ್ಕದವರ ಪಟ್ಟಣವನ್ನು
ಕಾಯುತ್ತಿರಲು ೩೩ ನಾನು ಒಂದು ಕಲ್ಲಿಯಲ್ಲಿ ಕೂತು ಗೋಡೆಯಲ್ಲಿದ್ದ ಕಿಟಕಿಯೊಳಗಿಂದ
ಇಳಿಸಲ್ಪಟ್ಟು ಅವನ ಕೈಯಿಂದ ತಪ್ಪಿಸಿಕೊಂಡೆನು.

೧೨ ೧ ಹೊಗಳಿಕೊಳ್ಳುವದು ವಿಹಿತವನ್ನದಿದ್ದರೂ ಅದು ನನಗೆ ಅವಶ್ಯವಾಗಿದೆ. ಆದದರಿಂದ
ಕರ್ತನು ನನಗೆ ದಯಪಾಲಿಸಿದ ದರ್ಶನಗಳನ್ನೂ ಕುರಿತು ತಿಳಿಯಪಡಿಸಿದ
ರಹಸ್ಯಗಳನ್ನು ಕುರಿತೂ ಹೇಳುತ್ತೇನೆ. ೨ ಕ್ರಿಸ್ತನಲ್ಲಿದ್ದ ಒಬ್ಬ ಮನುಷ್ಯನನ್ನು ಬಲ್ಲೆನು. ಅವನು
ಹದಿನಾಲ್ಕು ವರುಷಗಳ ಹಿಂದೆ ಮೂರನೇಯ ಆಕಾಶದ ಪರ್ಯಂತರಕ್ಕೂ ಒಯ್ಯಲ್ಪಟ್ಟನು. ಅವನು
ದೇಹಸಹಿತನಾಗಿ ಒಯ್ಯಲ್ಪಟ್ಟನೋ ದೇಹರಹಿತನಾಗಿ ಒಯ್ಯಲ್ಪಟ್ಟನೋ ನಾನರಿಯೆ. ದೇವರೇ
ಬಲ್ಲನು. ೩-೪ ಮನುಷ್ಯನು ಪರದೈಸಕ್ಕೆ ಒಯ್ಯಲ್ಪಟ್ಟುಮನುಷ್ಯರು ನುಡಿಯಲಶಕ್ಯವಾದಹೇಳಬಾರದ
ಮಾತುಗಳನ್ನು ಕೇಳಿದನೆಂದೂ ಬಲ್ಲೆನು.ಆ ಸಮಯದಲ್ಲಿ ಆತನು ದೇಹಸಹಿತನಾಗಿದ್ದನೋ
ದೇಹರಹಿತನಾಗಿದ್ದನೋ ನಾನರಿಯೆ ದೇವರೇ ಬಲ್ಲನು ೫.ಅಂಥವನನ್ನು ಕುರಿತು ಹೆಚ್ಚಳ
ಪಡುವೆನು. ನನ್ನನ್ನು ಕುರಿತಾದರೋ ನನ್ನ ನಿರ್ಭಲಾವಸ್ಥೆಗಳಲ್ಲಿಯೇ ಹೊರತು ಬೇರೆ
ಹೆಚ್ಚಳಪಡುವದಿಲ್ಲ. ೬ ಹೊಗಳಿಕೊಳ್ಳುವದಕ್ಕೆ ನನಗೆ ಒಂದು ವೇಳೆ ಮನಸ್ಸಿದ್ದರೂ
ಹಾಗೆ ಹೊಗಳಿಕೊಳ್ಳುವದರಲ್ಲಿ ನಾನು ಬುದ್ದಿಹೀಣಾಗುವದಿಲ್ಲ. ಯಾಕಂದರೆ ಸತ್ಯವನ್ನೇ
ಹೇಳುತ್ತಿರುವೆನು. ಆದರೂ ಯಾವನೂ ನನ್ನಲ್ಲಿಕಾಣುವದಕ್ಕಿಂತಲೂ ನನ್ನಿಂದ ಕೇಳುವದಕ್ಕಿಂತಲೂ
ಹೆಚ್ಚಾಗಿ ನನ್ನನ್ನು ಕುರಿತು ಎಣಿಸಬಾರದು. ೭ ಈ ಕಾರಣದಿಂದಲೂ ನನಗೆ ತಿಳಿಸಲ್ಪಟ್ಟ
ರಹಸ್ಯಗಳು ಬಹು ವಿಶೇಷವಾಗಿರುವದರಿಂದಲೂ ನಾನು ಹೊಗಳಿಕೊಳ್ಳದೇ ಸುಮ್ಮನಿರುತ್ತೇನೆ.
ನಾನು ನನ್ನನ್ನು ಅತಿಶಯವಾಗಿ ಹೆಚ್ಚಿಸಿಕೊಳ್ಳಬಾರದೆಂದು ಒಂದು ಶೂಲ ನನ್ನ ಶರೀರದಲ್ಲಿ
ನಾಟಿದೆಯೋ ಎಂಬಂತೆ ನನ್ನನ್ನು ಗುದ್ದುವದಕ್ಕೆ ಸೈತಾನನ ದೂತರಲ್ಲಿ ಒಬ್ಬನು ನನ್ನ ಬಳಿಗೆ
ಕಳುಹಿಸಲ್ಪಟ್ಟನು. ನಾನು ಅತಿಶಯವಾಗಿ ಹೆಚ್ಚಿಸಿಕೊಳ್ಳಬಾರದೆಂತಲೇ ಇದಾಯಿತು. ೮ ಈ
ಪೀಡೆಯ ವಿಷಯದಲ್ಲಿ ಅದು ನನ್ನನ್ನು ಬಿಟ್ಟು ಹೋಗಬೇಕೆಂದು ಮೂರು ಸಾರಿ ಕರ್ತನನ್ನು
ಬೇಡಿಕೊಂಡೆನು. ೯ ಅದಕ್ಕಾತನು – ನನ್ನ ಕೃಪೆಯೇ ನಿನಗೆ ಸಾಕು ಬಲಹೀನತೆಯಲ್ಲಿಯೇ ಬಲವು
ಪೂರ್ಣಸಾಧಕವಾಗುತ್ತದೆ. ಎಂದು ನನಗೆ ಹೇಳಿದ್ದಾನೆ. ಹೀಗಿರಲಾಗಿ ಕ್ರಿಸ್ತನ ಬಲವು ನನ್ನಲ್ಲಿ
ನೆಲೆಸಿಕೊಂಡಿರಬೇಕೆಂದು ನನಗುಂಟಾಗುವ ನಿರ್ಬಲಾವಸ್ಥೆಗಳ ವಿಷಯದಲ್ಲಿಯೇ ಬಹು
ಸಂತೋಷವಾಗಿ ಹೆಚ್ಚಳಪಡುವೆನು. ೧೦ ಆದದರಿಂದ ಕ್ರಿಸ್ತನ ನಿಮಿತ್ತ ನನಗೆ ನಿರ್ಭಲಾವಸ್ಥೆಯೂ

ತಿರಸ್ಕಾರವೂ ಕಠೋರತೆಯೂ ಹಿಂಸೆಯೂ ಇಕ್ಕಟ್ಟೂ ಸಂಭವಿಸಿದಾಗ ಸಂತುಷ್ಟನಾಗಿದ್ದೇನೆ. ನಾನು
ಯಾವಾಗ ನಿರ್ಭಲನಾಗಿದ್ದೇನೆಯೋ ಆವಾಗಲೇ ಬಲವುಳ್ಳವನಾಗಿದ್ದೇನೆ.

ಪೌಲನು ತನ್ನ ಪ್ರತಿವಾದವನ್ನು ಮುಗಿಸಿ ತಾನು ಕೊರಿಂಥಕ್ಕೆ
ಬಂದು ಎಲ್ಲವನ್ನು ಕ್ರಮಪಡಿಸುವೆನೆಂದು ಹೇಳುವದು.

೧೧ ನಾನು ಹೀಗೆ ಬರೆದು ಬುದ್ಧಿಹೀನನಾದೆನು. ಅದಕ್ಕೆ ನೀವೇ ನನ್ನನ್ನು ಬಲವಂತ
ಮಾಡಿದಿರಿ. ನಿಮ್ಮಿಂದಲೇ ನನಗೆ ಹೊಗಳಿಕೆಯು ಉಂಟಾಗಬೇಕಾಗಿತ್ತು. ಯಾಕಂದರೆ
ನನು ಕೇವಲ ಅಲ್ಪನಾದರೂ ಅತಿ ಶ್ರೇಷ್ಟರದ ಅಪೊಸ್ತಲರು ಅನ್ನಿಸಿಕೊಳ್ಳುವ ಆ ಜನರಿಗಿಂತ
ಒಂದರಲ್ಲಿಯಾದರೂ ಕಡಿಮೆಯಾಗಲಿಲ್ಲ. ೧೨ ನಾನು ಹಿಂಸೆಯನ್ನು ಸ್ಥಿರಚಿತ್ತದಿಂದ
ತಾಳಿಕೊಳ್ಳುವದರಲ್ಲಿಯೂ ಸೂಚಕಕಾರ್ಯಗಳನ್ನೂ ಅದ್ಭುತಗಳನ್ನೂ ಮಹತ್ಕಾರ್ಯಗಳನ್ನೂ
ನಡಿಸಿದ್ದರಲ್ಲಿಯೂ ಅಒಪಸ್ತಲನಿಗೆ ಇರತಕ್ಕ ಲಕ್ಷಣಗಳು ನಿಮ್ಮ ಮಧ್ಯದಲ್ಲಿ ತೋರಿದವು.
೧೩ ನನ್ನನ್ನು ಸಂರಕ್ಷಿಸುವ ಬಾರವನ್ನು ನಾಣು ನಿಮ್ಮ ಮೇಲೆ ಹಾಕಲಿಲ್ಲವೆಂಬುವ ಒಂದೇ
ವಿಷಯದಲ್ಲಿ ಹೊರತು ಇನ್ನಾವ ವಿಷಯದಲ್ಲಿಯೂ ನಿಮ್ಮನ್ನು ಮಿಕ್ಕಾದ ಸಭೆಗಳವರಿಗಿಂತ
ಕಡಿಮೆಮಾಡಲಿಲ್ಲವಲ್ಲಾ.ನಾನು ಮಾಡಿದ ಈ ಅನ್ಯಾಯವನ್ನು ಕ್ಷಮಿಸಿರಿ. ೧೪ ಇಗೋ ನಾನು
ನಿಮ್ಮ ಬಳಿಗೆ ಬರುವದಕ್ಕೆ ಸಿದ್ದವಾಗಿರುವದು ಇದು ಮೂರನೇ ಸಾರಿ ಮತ್ತು ನಿಮಗೆ
ಬಾರವಾಗಿರುವದಿಲ್ಲ. ನಾನು ನಿಮ್ಮ ಸೊತ್ತನ್ನು ಆಶಿಸದೇ ನಿಮ್ಮನೇ ಆಶಿಸುತ್ತೇನೆ. ಮಕ್ಕಳು
ತಂದೆತಾಯಿಗಳಿಗೋಸ್ಕರ ದ್ರವ್ಯವನ್ನು ಕೂಡಿಸಿಡುವದು ಧರ್ಮವಲ್ಲ ತಂದೆತಾಯಿಗಳು
ಮಕ್ಕಳಿಗೊಸ್ಕರ ಕೂಡಿಸಿಡುವದೇ ಧರ್ಮ. ೧೫ ನಾನಂತೂ ನನಗಿರುವದನ್ನು ನಿಮ್ಮ
ಆತ್ಮ ಸಂರಕ್ಷಣೆಗೋಸ್ಕರ ಅತೀ ಸಂತೋಷದಿಂದ ವೆಚ್ಚ ಮಾಡುತ್ತೇನೆ. ನನ್ನನ್ನೇ ವೆಚ್ಚ
ಮಾಡಿಕೊಳ್ಳುತ್ತೇನೆ. ನಾನು ನಿಮ್ಮನ್ನು ಹೆಚ್ಚಾಗಿ ಪ್ರೀತಿಸಿದರೆ ನೀವು ನನ್ನನ್ನು ಕಡಿಮೆಯಾಗಿ
ಪ್ರೀತಿಸುತ್ತಿದ್ದಿರೋ? ೧೬ ಒಂದು ವೇಳೆ ನೀವು – ಅದಿರಲಿ ತಾನು ನಮಗೆ ಬಾರವಾಗದೇ
ಹೋದರೂ ಯುಕ್ತಿಯುಳ್ಳವನಾಗಿದ್ದರು ನಮ್ಮನ್ನು ಉಪಾಯದಿಂದ ಸುಲುಕೊಂಡನೆಂದು
ಹೇಳೀರಿ. ೧೭ ನಾನು ನಿಮ್ಮ ಬಳಿಗೆ ಕಳುಹಿಸಿದವರಲ್ಲಿ ಯಾವನ ಮೂಲಕವಾಗಿಯಾಗಲಿ
ನಿಮ್ಮನ್ನು ವಂಚಿಸಿ ಏನದರೂ ತೆಗೆದುಕೊಂಡೆನೋ , ೧೮ ನಿಮ್ಮ ಬಳಿಗೆ ಹೋಗುವದಕ್ಕೆ ನಾನು
ತೀತನನ್ನು ಬೇಡಿಕೊಂಡು ಅವನ ಜೊತೆಯಲ್ಲಿ ಆ ಸಹೋದರನನ್ನು ಕಳುಹಿಸಿ ಕೊಟ್ಟನಷ್ಟೆ.
ತೀತನು ನಿಮ್ಮನ್ನು ವಂಚಿಸಿ ಏನಾದರೂ ತೆಗೆದುಕೊಂಡನೋ ನಾವಿಬ್ಬರು ಒಬ್ಬ ಆತ್ಮನಿಂದಲೇ
ಪ್ರೇರಿತರಾಗಿ ಒಂದೇ ಹೆಜ್ಜೆ ಜಾಡಿನಲ್ಲಿ ನಡೆಯಲಿಲ್ಲವೋ? ೧೯ ನಾವು ಇಷ್ಟು ಹೊತ್ತು ನಿಮ್ಮ
ಮುಂದೆ ಪ್ರತಿವಾದ ಮಾಡುವವರೆಂದು ನೆನಸುತ್ತಿರೋ . ನಿಮ್ಮ ಮುಂದೆಯಲ್ಲಾ . ದೇವರ
ಸನ್ನಿಧಾನದಲ್ಲಿಯೇ ನಾವು ಕ್ರಿಸ್ತನಲ್ಲಿದ್ದು ಮಾತಾಡುವವರಾಗಿದ್ದೇವೆ. ಪ್ರಿಯರೇ ನಾವು
ಮಾತಾಡುವದನ್ನೆಲ್ಲ ಭಕ್ತಿವೃದ್ಧಿಗೊಸ್ಕವೇ ಆಗಿದೆ. ೨೦ ನಾನು ಬಂದಾಗ ಒಂದು ವೇಳೆ ನೀವು
ನನ್ನ ಇಷ್ಟದ ಪ್ರಕಾರ ತೋರುವದಿಲ್ಲವೆನೋ ಒಂದು ವೇಳೆ ನಿಮ್ಮಲ್ಲಿ ಜಗಳ ಹೊಟ್ಟೆಕಿಚ್ಚು
ದ್ವೇಷ ಸ್ವಾರ್ಥಬುದ್ಧಿ ಚಾಡಿಹೇಳುವದು ಕಿವಿಯೂದುವದು ಉಬ್ಬಿಕೊಳ್ಳುವದು ಏನೋ ನನಗೆ
ಸಂಶಯವುಂಟು. ೨೧ ನಾನು ತಿರಿಗಿ ಬಂದಾಗ ನನ್ನ ದೇವರು ನಿಮ್ಮ ವಿಷಯದಲ್ಲಿ ನನ್ನನ್ನು
ನಾಚಿಕೆಗೆ ಗುರಿಮಾಡಾನೆಂತಲೂ ಪೂರ್ವದಲ್ಲಿ ಬಂಡುತನ ಹೆದರತನ ಪೋಕರಿತನಗಳನ್ನು
ನಡಿಸಿ ಪಶ್ಚಾತ್ತಾಬಡದಿರುವ ಅನೇಕರ ವಿಷಯವಾಗಿ ನಾನು ದುಃಖಪಡಬೇಕಾದೀತೆಂತಲೂ
ನನಗೆ ಭಯವುಂಟು.

೧೩ ೧ ನಾನು ನಿಮ್ಮ ಬಳಿಗೆ ಬರುವದು ಇದು ಮೂರನೆಯ ಸಾರಿ ಇಬ್ಬರು ಮೂವರು
ಸಾಕ್ಷಿಗಳ ಬಾಯಿಂದ ಪ್ರತಿಯೊಂದು ಸಂಗತಿ ಸ್ಥಾಪಿತವಾಗಬೇಕು. ೨ ನಾನು ಎರಡನೆಯ
ಸಾರಿ ನಿಮ್ಮಲ್ಲಿದ್ದಾಗ ತಿರಿಗಿ ಬಂದರೆ ನಿಮ್ಮನ್ನು ಶಿಕ್ಷಿಸದೆ ಬಿಡುವದಿಲ್ಲವೆಂದು ಹೇಹೆ
ಹೇಳಿದೆನೋ ಹಾಗೆಯೇ ಈಗಲು ನಿಮಗೆ ದೂಒದಲ್ಲಿದ್ದು ಪೂರ್ವ ಪಾಪಕೃತ್ಯಗಳನ್ನು
ಇನ್ನೂ ನಡಿಸುವವರಿಗೂ ಮಿಕ್ಕಾದವರೆಲ್ಲರಿಗೂ ಹೇಳುತ್ತೇನೆ. ೩ ಕ್ರಿಸ್ತನು ನನ್ನಲ್ಲಿ
ಮಾತಾಡುತ್ತಾನೆಂಬುವದಕ್ಕೆ ನಿಮಗೆ ಬೇಖಾದ ಪ್ರಮಾಣವು ಆಗ ತೋರಿಸುವದು. ಆತನು
ನಿಮ್ಮನ್ನು ಕುರಿತು ನಿರ್ಭಲನಾಗಿರದೆ ಬಲವಾದ ಕೆಲಸಗಳನ್ನು ನಿಮ್ಮಲ್ಲಿ ನಡಿಸುವವನಾಗಿದ್ದನೆ.
೪ ಆತನು ಬಲಹೀನಾವಸ್ಥೆಯಲ್ಲಿದ್ದದರಿಂದ ಶಿಲುಬೆಗೆ ಹಾಕಲ್ಪಟ್ಟನು. ನಿಜ ಆದರೂ ದೇವರ
ಬಲದಿಂದ ಬದುಕುತ್ತಾನೆ. ನಾವು ಸಹ ಆತನ ಬಲಹೀನಾವಸ್ಥೆಯಲ್ಲಿ ಪಾಲುಗಾರರಾಗಿದ್ದೇವೆ.

ಆದರೂ ಆತನೊಂದಿಗೆ ದೇವರ ಬಲದಿಂದ ಬದುಕುವವರಾಗಿದ್ದೇವೆ. ಇದು ನಿಮಗೆ
ತೋರಿಬರುವದು.
೫ ಕ್ರಿಸ್ತನಂಬಿಕೆಯಲ್ಲಿ ಇದ್ದೀರೋ ಇಲ್ಲವೋ ಎಂದು ನಿಮ್ಮನ್ನು ನೀವೇ ಪರೀಕ್ಷಿಸಿಕೊಳ್ಳಿರಿ.
ನಿಮ್ಮನ್ನು ಪರಿಶೋಧಿಸಿಕೊಳ್ಳಿರಿ. ಏನು ಯೇಸು ಕ್ರಿಸ್ತನು ನಿಮ್ಮಲ್ಲಿದ್ದಾನೆಂಬುದು ನಿಮ್ಮನ್ನು
ಕುರಿತು ನಿಮಗೆ ಹೆಚ್ಚಾಗಿ ತಿಳಿಯುವದಿಲ್ಲವೋ? ಆತನು ನಿಮ್ಮಲ್ಲಿಲ್ಲದಿದ್ದರೆ ನೀವು
ಅಯೋಗ್ಯರೇ. ೬ ನಾವಂತೂ ಅಯೋಗ್ಯರಲ್ಲವೆಂದು ನಿಮಗೆ ಗೊತ್ತಾಗುವದೆಂಬದಾಗಿ
ನಿರೀಕ್ಷಿಸುತ್ತೇನೆ. ೭ ನೀವು ಕೆಟ್ಟದ್ದೇನೂ ಮಾಡಬಾರದೆಂದು ನಾವು ದೇವರನ್ನು
ಪ್ರಾರ್ಥಿಸುತ್ತೇವೆ. ಇದರಲ್ಲಿ ನಾವೇ ಯೋಗ್ಯರಾಗಿ ತೋರಿಬರಬೇಕೆಂಬದು ನಮ್ಮ ಉದ್ದೇಶವಲ್ಲ.
ನಾವು ಅಯೋಗ್ಯರೆನಿಸಿಕೊಂಡರೂ ನೀವು ಒಳ್ಳೆಯದನ್ನು ಮಾಡುವವರಾಗಬೇಕೆಂಬದೇ ನಮ್ಮ
ಉದ್ದೇಶ. ೮ ಸತ್ಯಕ್ಕೆ ವಿರೋಧವಾಗಿ ನಾವೇನೂ ಮಾಡಲಾರೆವು. ಸತ್ಯಾಭಿವೃದ್ಧಿಗೋಸ್ಕರವೇ
ಸಮಸ್ತವನ್ನು ಮಾಡುತ್ತೇವೆ. ೯ ನಾವು ಬಲಹೀನರಾಗಿದ್ದರೂ ನೀವು ಬಲಿಷ್ಠರಾಗಿದ್ದ ಪಕ್ಷಕ್ಕೆ
ಸಂತೋಷವಾಗಿದ್ದೇವೆ. ಇದಲ್ಲದೆ ನೀವು ಪೂರ್ಣ ಕ್ರಮಕ್ಕೆ ಬರಬೇಕೆಂದು ಪ್ರಾರ್ಥಿಸುತ್ತೇವೆ.
೧೦ ಇದಕ್ಕಾಗಿಯೇ ನಾನು ನಿಮ್ಮಲ್ಲಿ ಇಲ್ಲದಿರುವಾಗ ಈ ಮಾತುಗಳನ್ನು ಬರೆದಿದ್ದೇನೆ. ನಿಮ್ಮನ್ನು
ಕೆಡವಿಹಾಕುವದಕ್ಕಲ್ಲ ಕಟ್ಟುವದಕ್ಕಾಗಿ ಕರ್ತನು ಕೊಟ್ಟಿರುವ ಅಧಿಕಾರದ ಪ್ರಯೋಗದಲ್ಲಿ ನಿಮ್ಮ
ಬಳಿಗೆ ಬಂದಾಗ ಕಾಠಿಣ್ಯವನ್ನು ತೋರಿಸುವದಕ್ಕೆ ಅವಕಾಶವಿರಬಾರದೆಂದು ಅಪೇಕ್ಷಿಸುತ್ತೇನೆ,

## ಕಡೇ ಮಾತುಗಳು.

೧೧ ಕಡೇ ಮಾತುಗಳೇನಂದರೆ ಸಹೋದರರೇ ಸಂತೋಷಪಡಿಸಿರಿ. ಕ್ರಮಪಡಿಸಿಕೊಳ್ಳಿರಿ
.ಧೈರ್ಯವುಳ್ಳವರಾಗಿರಿ. ಒಂದೇ ಮನಸ್ಸುಳ್ಳವರಾಗಿರಿ. ಸಮಾದಾನದಿಂದಿರಿ. ಆಗ ಪ್ರೀತಿಯನ್ನು
ಶಾಂತಿಯನ್ನು ಕೊಡುವ ದೇವರು ನಿಮ್ಮ ಸಂಗಡ ಇರುವನು. ೧೨ ಪವಿತ್ರವಾದ ಮುದ್ದಿಟ್ಟು
ಒಬ್ಬರನೊಬ್ಬರು ವಂದಿಸಿರಿ. ೧೩ ದೇವಜನರೆಲ್ಲರೂ ನಿಮಗೆ ವಂದನೆ ಹೇಳುತ್ತಾರೆ. ೧೪ ನಮ್ಮ
ಕರ್ತನಾದ ಯೇಸು ಕ್ರಿಸ್ತನ ಕೃಪೆಯೂ ದೇವರ ಪ್ರೀತಿಯೂ ಪವಿತ್ರಾತ್ಮನ ಅನ್ಯೋನ್ಯತೆಯೂ
ನಿಮ್ಮೆಲ್ಲರ ಸಂಗಡವಿರಲಿ

# ಪೌಲನು ಎಫೆಸದವರಿಗೆ ಬರೆದ ಪತ್ರಿಕೆ

## ಒಕ್ಕಣಿ

೧ [೧] ದೇವರ ಚಿತ್ತಾನುಸಾರವಾಗಿ ಕ್ರಿಸ್ತ ಯೇಸುವಿನ ಅಪೊಸ್ತಲನಾದ ಪೌಲನು
ಎಫೆಸದಲ್ಲಿರುವ ದೇವಜನರಿಗೂ ಕ್ರಿಸ್ತ ಯೇಸುವಿನಲ್ಲಿ ನಂಬಿಕೆಯಿಟ್ಟಿರುವವರಿಗೂ
ಬರೆಯುವದೇನಂದರೆ, - [೨] ನಮ್ಮ ತಂದೆಯಾದ ದೇವರಿಂದಲೂ ಕರ್ತನಾದ ಯೇಸು
ಕ್ರಿಸ್ತನಿಂದಲೂ ನಿಮಗೆ ಕೃಪೆಯು ಶಾಂತಿಯೂ ಆಗಲಿ.

## ದೇವರು ಕ್ರಿಸ್ತನಲ್ಲಿ ಅನುಗ್ರಹಿಸಿದ ಆತ್ಮೀಯ ವರಗಳಿಗಾಗಿ ಪೌಲನು ಮಾಡುವ ಸ್ತೋತ್ರ.

[೩] ನಮ್ಮ ಕರ್ತನಾದ ಯೇಸು ಕ್ರಿಸ್ತನ ದೇವರೂ ತಂದೆಯೂ ಆಗಿರುವಾತನಿಗೆ ಸ್ತೋತ್ರ.
ಆತನು ಪರಲೋಕದಲ್ಲಿನ ಸಕಲ ಆತ್ಮೀಯ ವರಗಳನ್ನು ನಮಗೆ ಕ್ರಿಸ್ತ ಯೇಸುವಿನಲ್ಲಿ
ಅನುಗ್ರಹಿಸಿದ್ದಾನೆ. [೪] ಹೇಗಂದರೆ ನಾವು ಪ್ರೀತಿಯಲ್ಲಿ ನಡೆದು ಆತನ ಸನ್ನಿಧಿಯಲ್ಲಿ
ಪರಿಶುದ್ಧರೂ ದೋಷವಿಲ್ಲದವರೂ ಆಗಿರಬೇಕೆಂದು ನಮ್ಮನ್ನು ಜಗದುತ್ಪತ್ತಿಗೆ ಮುಂಚೆ
ಕ್ರಿಸ್ತನಲ್ಲಿ ಆರಿಸಿಕೊಂಡನು. [೫-೬] ಆತನು ತನ್ನ ಕೃಪೆಯನ್ನು ಪ್ರಖ್ಯಾತಿಗೆ ತರಬೇಕೆಂದು ನಮ್ಮನ್ನು
ಯೇಸು ಕ್ರಿಸ್ತನ ಮೂಲಕ ತನ್ನ ಪುತ್ರರನ್ನಾಗಿ ಸ್ವೀಕರಿಸುವದಕ್ಕೆ ದಯಾಪೂರ್ವಕವಾದ ತನ್ನ
ಚಿತ್ತಾನುಸಾರವಾಗಿ ಮೊದಲೇ ಸಂಕಲ್ಪಮಾಡಿದ್ದನು. ಈ ಕೃಪಾದಾನವು ಆತನ ಪ್ರಿಯನಲ್ಲಿಯೇ
ನಮಗೆ ದೊರೆಯಿತು. [೭] ಈತನು ನಮಗೋಸ್ಕರ ತನ್ನ ರಕ್ತವನ್ನು ಸುರಿಸಿದ್ದರಿಂದ ನಮ್ಮ
ಅಪರಾಧಗಳು ಪರಿಹಾರವಾಗಿ ನಮಗೆ ಬಿಡುಗಡೆಯಾಯಿತು. ಇದು ದೇವರ ಕೃಪಾತಿಶಯವೇ.
[೮] ಆತನು ರಹಸ್ಯವಾದ ತನ್ನ ಸಂಕಲ್ಪವನ್ನು ನಮಗೆ ತಿಳಿಯಪಡಿಸುವದರ ಮೂಲಕ ವಿಶೇಷವಾದ
ಜ್ಞಾನವನ್ನೂ ಬುದ್ಧಿಯನ್ನೂ ಕೊಟ್ಟು ಆ ಕೃಪೆಯನ್ನೂ ಇನ್ನೂ ಹೆಚ್ಚಾಗಿ ನಮಗೆ ತೋರಿಸಿದ್ದಾನೆ.
[೯-೧೦] ಕಾಲವು ಪರಿಪೂರ್ಣವಾದಾಗ ನಿರ್ವಹಿಸಬೇಕಾದ ಒಂದು ಕೃಪೆಯುಳ್ಳ ಸಂಕಲ್ಪವನ್ನು ಆತನು
ಕ್ರಿಸ್ತನಲ್ಲಿ ಮೊದಲೇ ನಿಷ್ಕರ್ಷೆಮಾಡಿಕೊಂಡಿದ್ದನು. ಅದೇನಂದರೆ, ಭೂಪರಲೋಕಗಳಲ್ಲಿ
ಇರುವ ಸಮಸ್ತವನ್ನೂ ಕ್ರಿಸ್ತನಲ್ಲಿ ಒಂದಾಗಿ ಕೂಡಿಸಬೇಕೆಂಬದೇ [೧೧-೧೨] ಕ್ರಿಸ್ತನಲ್ಲಿಯೇ ಸಮಸ್ತವು
ಒಂದಾಗುವದು ಇದಲ್ಲದೆ ಆತನಲ್ಲಿ ನಾವು ದೇವರ ಸ್ವಕೀಯ ಪ್ರಜೆಯಾದೆವು. ಬರಬೇಕಾದ
ಕ್ರಿಸ್ತನನ್ನು ಎದುರುನೋಡುತ್ತಿದ್ದ ನಾವು ತನ್ನ ಮಹಿಮೆಯನ್ನು ಪ್ರಖ್ಯಾತಿಪಡಿಸಬೇಕೆಂದು
ಸಮಸ್ತ ಕಾರ್ಯಗಳನ್ನು ತನ್ನ ಇಷ್ಟದಂತೆ ನಡಿಸುವ ದೇವರು ತನ್ನ ಸಂಕಲ್ಪೊ ಮೇರೆಗೆ ನಮ್ಮನ್ನು
ಆದಿಯಲ್ಲಿಯೇ ಆರಿಸಿಕೊಂಡನು. [೧೩] ನಿಮ್ಮ ರಕ್ಷಣೆಯ ವಿಷಯವಾದ ಸುವಾರ್ತೆಯೆಂಬ
ಸತ್ಯವಾಕ್ಯವನ್ನು ಕೇಳಿ ಕ್ರಿಸ್ತನಲ್ಲಿ ನಂಬಿಕೆಯಿಟ್ಟವರಾದ ನೀವು ಸಹ ವಾಗ್ದಾನ ಮಾಡಲ್ಪಟ್ಟ
ಪವಿತ್ರಾತ್ಮನೆಂಬ ಮುದ್ರೆಯನ್ನು ಹೊಂದಿದಿರಿ. [೧೪] ದೇವರು ಸಂಪಾದಿಸಿಕೊಂಡ ಜನರಿಗೆ
ವಿಮೋಚನೆಯಾಗುವದೆಂಬದಕ್ಕೆ ಪವಿತ್ರಾತ್ಮನು ನಮ್ಮ ಬಾಧ್ಯತೆಗೆ ಸಂಚಕಾರವಾಗಿದ್ದಾನೆ.ಆ
ವಿಮೋಚನೆಯು ದೇವರ ಮಹಿಮೆಗೆ ಎಷ್ಟೋ ಪ್ರಖ್ಯಾತಿಯನ್ನು ಉಂಟುಮಾಡುತ್ತದೆ.

## ದೇವಜನರ ಮಹಾ ಪದವಿಯ ವಿಷಯದಲ್ಲಿ ದೇವರು ಸಭೆಯವರಿಗೆ ಹೆಚ್ಚಾದ ಜ್ಞಾನವನ್ನು ದಯಪಾಲಿಸಬೇಕೆಂದು ಪೌಲನು ಮಾಡುವ ಪ್ರಾರ್ಥನೆ.

[೧೫] ಹೀಗಿರಲಾಗಿ ಕರ್ತನಾದ ಯೇಸುವಿನಲ್ಲಿ ನೀವು ಇಟ್ಟಿರುವ ನಂಬಿಕೆಯನ್ನು ಕುರಿತು
ದೇವಜನರೆಲ್ಲರಿಗೆ ನೀವು ತೋರಿಸುವ ಪ್ರೀತಿಯನ್ನೂ ಕುರಿತೂ ಕೇಳಿ ನಾನು ನಿಮ್ಮ
ನಿಮಿತ್ತವಾಗಿ ಎಡೆಬಿಡದೆ ದೇವರಿಗೆ ಸ್ತೋತ್ರ ಮಾಡುತ್ತೇನೆ. [೧೬] ನನ್ನ ಪ್ರಾರ್ಥನೆಗಳಲ್ಲಿ
ನಿಮಗೋಸ್ಕರ ವಿಜ್ಞಾಪನೆ ಮಾಡಿ – [೧೭] ನಮ್ಮ ಕರ್ತವಾದ ಯೇಸು ಕ್ರಿಸ್ತನ ದೇವರೂ
ಪ್ರಭಾವಸ್ವರೂಪನಾದ ತಂದೆಯೂ ಆಗಿರುವಾತನು ತನ್ನ ವಿಷಯವಾಗಿ ತಿಳುವಳಿಕೆಯನ್ನು
ಕೊಟ್ಟು ಇದುವರೆಗೆ ಗುಪ್ತವಾಗಿದ್ದ ಸತ್ಯಾರ್ಥಗಳನ್ನು ತಿಳುಕೊಳ್ಳುವ ಜ್ಞಾನವುಳ್ಳ ಆತ್ಮವನ್ನು ನಿಮಗೆ
ದಯಪಾಲಿಸಬೇಕೆಂದು ಪ್ರಾರ್ಥಿಸುತ್ತೇನೆ. [೧೮] ಆತನು ನಿಮ್ಮ ಮನೋನೇತ್ರಗಳನ್ನು ಬೆಳಗಿಸಿ
ಆತನಿಂದ ಕರಿಸಿಕೊಂಡವರು ನಿರೀಕ್ಷಿಸುವ ಪದವಿ ಎಂಥದೆಂಬದನ್ನೂ ದೇವಜನರೆಂಬ ಆತನ
ಸ್ವಾಸ್ಥ್ಯದ ಮಹಿಮಾತಿಶಯವು ಎಂಥದೆಂಬದನ್ನೂ ನಂಬುವವರಾದ ನಮ್ಮಲ್ಲಿ. [೧೯] ಆತನು ಸಾಧಿಸುವ
ಪರಾಕ್ರಮವು ಎಷ್ಟು ಅತಿಶಯವಾದದ್ದೆಂಬದನ್ನೂ ನೀವು ತಿಳುಕೊಳ್ಳುವಂತೆ ಅನುಗ್ರಹಿಸಲಿ.

೨೦ ಆತನ ಬಲಾತಿಶಯವು ಎಷ್ಟು ಮಹತ್ತಾದದ್ದೆಂಬದು ಕ್ರಿಸ್ತನಲ್ಲಿ ತೋರಿಬಂದಿದೆ. ಹೇಗಂದರೆ
ಆತನು ಸತ್ತಿದ್ದ ಕ್ರಿಸ್ತನನ್ನು ಬದುಕಿಸಿದ ಪರಲೋಕದೊಳಗೆ , ೨೧ ಸಕಲ ರಾಜತ್ವ ಅಧಿಕಾರ
ಮಹತ್ವ ಪ್ರಭುತ್ವಾದಿಗಳ ಮೇಲೆಯೂ ಈಲೋಕದಲ್ಲಿ ಮಾತ್ರವಲ್ಲದೆ ಬರುವ ಲೋಕದಲ್ಲಿ ಸಹ
ಹೆಸರುಗೊಂಡವರೆಲ್ಲರ ಮೇಲೆಯೂ ತನ್ನ ಬಲಗಡೆಯಲ್ಲಿ ಕೂಡ್ರಿಸಿಕೊಂಡನು. ೨೨ ಆತನು
ಸಮಸ್ತವನ್ನೂ ಕ್ರಿಸ್ತನ ಪಾದಗಳ ಕೆಳಗೆ ಹಾಕಿದನು. ಇದಲ್ಲದೆ ಆತನನ್ನು ಎಲ್ಲಾದರ ಮೇಲೆ ಇರಿಸಿ
ಸಭೆಗೆ ಶಿರಸ್ಸಾಗಿ ನೇಮಿಸಿದನು. ೨೩ ಸಭೆಯು ಆತವ ದೇಹವಾಗಿದೆ. ಎಲ್ಲವನ್ನೂ ಎಲ್ಲಾ
ಸಂಬಂಧದಲ್ಲಿ ವ್ಯಾಪಿಸುವಾತನಿಂದ ಅದು ಪರಿಪೂರ್ಣತೆಯುಳ್ಳದ್ದಾಗಿದೆ.

## ದೇವರು ಪಾಪಾತ್ಮರನ್ನು ರಕ್ಷಿಸಿ ಕ್ರಿಸ್ತನ ಜೀವದಲ್ಲಿ ಪಾಲುಗಾರರನ್ನಾಗಿ ಮಾಡಿದ್ದಕ್ಕೆ ಆತನ ಕೃಪೆಯೇ ಕಾರಣ

೨ ೧ ಆತನು ಅಪರಾಧಗಳ ಹಾಗೂ ಪಾಪಗಳ ದೆಸೆಯಿಂದ ಸತ್ತವರಾದ ನಿಮ್ಮನ್ನು ಸಹ
ಬದುಕಿಸಿದನು. ೨ ನೀವು ಪೂರ್ವದಲ್ಲಿ ಅಪರಾಧವನ್ನೂ ಪಾಪಗಳನ್ನೂ ಮಾಡುವವರಾಗಿದ್ದು
ಇಹಲೋಕಾಚಾರಕ್ಕೆ ಅನುಸಾರವಾಗಿ ನಡೆದುಕೊಂಡಿರಿ. ವಾಯುಮಂಡಲದಲ್ಲಿ ಅಧಿಕಾರ
ನಡಿಸುವ ಅಧಿಪತಿಗೆ ಅಂದರೆ ನಂಬಲೊಲ್ಲದವರನ್ನು ಅವಿಧೇಯತೆಗೆ ಈಗ ಪ್ರೇರಿಸುವ
ಆತ್ಮನಿಗೆ ಅನುಸಾರವಾಗಿ ನಡೆದುಕೊಂಡಿರಿ. ೩ ನಾವೆಲ್ಲರೂ ಪೂರ್ವದಲ್ಲಿ ಅವಿಧೇಯರಾಗಿದ್ದು
ಶರೀರಭಾವದ ಆಶೆಗಳಿಗೆ ಅಧೀನರಾಗಿ ಶರೀರಕ್ಕೂ ಮನಸ್ಸಿಗೂ ಸಂಬಂಧಪಟ್ಟ ಇಚ್ಛೆಗಳನ್ನು
ನೆರವೇರಿಸುತ್ತಾ ನಡೆದು ಮಿಕ್ಕಾದವರಂತೆ ಸ್ವಭಾವಸಿದ್ಧರಾಗಿ ದೇವರ ಕೋಪಕ್ಕೆ
ಗುರಿಯಾಗಿದ್ದೇವು. ೪ ಆದರೆ ಕರುಣಾನಿಧಿಯಾಗಿರುವ ದೇವರು ನಮ್ಮ ಮೇಲೆ ಮಹಾ
ಪ್ರೀತಿಯನ್ನಿಟ್ಟು ಅಪರಾಧಗಳ ದೆಸೆಯಿಂದ. ೫ ಸತ್ತವರಾಗಿದ್ದ ನಮ್ಮನ್ನು ಕ್ರಿಸ್ತನೊಂದಿಗೆ
ಬದುಕಿಸಿದನು. ಕೃಪೆಯಿಂದಲೇ ರಕ್ಷಣೆ ಹೊಂದಿದವರಾಗಿದ್ದಿರಿ. ೬ ಬದುಕಿಸಿದ್ದಲ್ಲದೆ
ತಾನು ಕ್ರಿಸ್ತ ಯೇಸುವಿನಲ್ಲಿ ನಮಗೆ ಮಾಡುವ ಉಪಕಾರದ ಮೂಲಕ ತನ್ನ ಅಪಾರವಾದ
ಕೃಪಾತಿಶಯವನ್ನು, ೭ ಮುಂದಣ ಯುಗಗಳಲ್ಲಿ ತೋರಿಸಬೇಕೆಂದು ಕ್ರಿಸ್ತಯೇಸುವಿನಲ್ಲಿರುವ
ನಮ್ಮನ್ನು ಆತನೊಂದಿಗೆ ಎಬ್ಬಿಸಿ ಪರಲೋಕದಲ್ಲಿ ಆತನೊಂದಿಗೆ ಕೂಡ್ರಿಸಿದ್ದಾನೆ.
೮ ನಂಬಿಕೆಯ ಮೂಲಕ ಕೃಪೆಯಿಂದಲೇ ರಕ್ಷಣೆ ಹೊಂದಿದವರಾಗಿದ್ದೀರಿ. ಆ ರಕ್ಷಣೆಯು
ನಿಮ್ಮಿಂದುಂಟಾದದ್ದಲ್ಲ, ಅದು ದೇವರ ವರವೇ. ೯ ಅದು ಪುಣ್ಯಕ್ರಿಯೆಗಳಿಂದ ಉಂಟಾದದ್ದಲ್ಲಾ
ಆದದರಿಂದ ಹೊಗಳಿಕೊಳ್ಳುವದಕ್ಕೆ ಯಾರಿಗೂ ಆಸ್ಪದವಿಲ್ಲ. ನಾವು ಆತನ ನಿರ್ಮಾಣ.
೧೦ ಸತ್ಕಾರ್ಯಗಳನ್ನು ಮಾಡುವದಕ್ಕಾಗಿಯೇ ಕ್ರಿಸ್ತ ಯೇಸುವಿನಲ್ಲಿ ಸೃಷ್ಟಿಸಲ್ಪಟ್ಟೆವು. ನಾವು
ಸತ್ಕಾರ್ಯಗಳನ್ನು ನಡಿಸುವವರಾಗಿ ಬದುಕಬೇಕೆಂದು ದೇವರು ನಮ್ಮನ್ನು ಮೊದಲೇ
ನೇಮಿಸಿದನು.

## ಯೆಹೂದ್ಯರಿಗೆ ಉಂಟಾದ ಎಲ್ಲಾ ವಾಗ್ದಾನಗಳಲ್ಲಿ ಅನ್ಯಜನಗಳು ಕ್ರಿಸ್ತನ ಮೂಖಾಂತರ ಸಮಭಾಗಿಗಳಾದರೆಂದು ಬೋಧನೆ.

(ಕೊಲೊ ೧ ; ೨೧- ೨೯)

೧೧ ನೀವು ಜನ್ಮದಿಂದ ಅನ್ಯಜನರಾಗಿದ್ದಿರಿ. ಶರೀರದಲ್ಲಿ ಕೈಯಿಂದ ಸುನ್ನತಿ ಮಾಡಿಸಿಕೊಂಡು
ಸುನ್ನತಿಯವರೆನ್ನಿಸಿಕೊಳ್ಳುವವರು ನಿಮ್ಮನ್ನು ಸುನ್ನತಿಯಿಲ್ಲದವರೆಂದು ಹೇಳುತ್ತಾರೆ ೧೨ ನೀವು
ಪೂರ್ವಕಾಲದಲ್ಲಿ ಕ್ರಿಸ್ತನನ್ನು ಸೇರದವರಾಗಿದ್ದು ಇಸ್ರಾಯೇಲ್ಯ ಹಕ್ಕಿನಲ್ಲಿ ಪಾಲಿಲ್ಲದವರೂ
ಅಬ್ರಹಾಮನಿಗೆ ಉಂಟಾದ ವಾಗ್ದಾನಕ್ಕೆ ಸಂಬಂಧವಾದ ಒಡಂಬಡಿಕೆಗಳಲ್ಲಿ ಸೇರದವರೈ
ಈಲೋಕದಲ್ಲಿ ಯಾವ ನಿರೀಕ್ಷೆಯಿಲ್ಲದವರೂ ದೇವರನ್ನರಿಯದವರೂ ಆಗಿದ್ದೀರೆಂದು
ಜ್ಞಾಪಕಮಾಡಿಕೊಳ್ಳಿರಿ. ೧೩ ಈಗಲಾದರೋ ಮೊದಲು ದೂರವಾಗಿದ್ದ ನೀವು ಕ್ರಿಸ್ತ ಯೇಸುವನ್ನು
ಸೇರಿದವರಾಗಿದ್ದು ಆತನ ರಕ್ತದ ಮೂಲಕ ಸಮೀಪಸ್ತರಾದಿರಿ. ೧೪ ನಿಮ್ಮನ್ನೂ ನಮ್ಮನ್ನೂ
ಒಂದುಮಾಡಿದನವಾದ ಆತನು ನಮಗೆ ಸಮಾಧಾನ ಕರ್ತೃವಾಗಿದ್ದಾನೆ. ಆತನು ತನ್ನ ಶರೀರವನ್ನು
ಸಮರ್ಪಿಸಿದ್ದರಲ್ಲಿ ವಧಿರೂಪವಾದ ಆಜ್ಞೆಗಳುಳ್ಳ ಧರ್ಮಶಾಸ್ತ್ರವನ್ನು ತೆಗೆದು ಹಾಕಿ ಇದ್ದ ದ್ವೇಷವನ್ನು
ಮಿಗಿಸಿ ನಮ್ಮನ್ನು ಅಗಲಿಸಿದ ಅಡ್ಡ ಗೋಡೆಯನ್ನು ಕೆಡವಿಹಾಕಿದನು. ೧೫ ಆತನು ಸಮಾಧಾನ
ಮಾಡುವವನಾಗಿ ಉಭಯರನ್ನೂ ತನ್ನಲ್ಲಿ ಒಬ್ಬ ನೂತನ ಪುರುಷನನ್ನಾಗಿ ನಿರ್ಮಿಸಿದ್ದಾನೆ. ೧೬ ಇದ್ದ
ದ್ವೇಷವನ್ನು ತನ್ನ ಶಿಲುಬೆಯ ಮೇಲೆ ಕೊಂದು ಆ ಶಿಲುಬೆಯ ಮೂಲಕ ಉಭಯರನ್ನೂ ಒಂದೇ
ದೇಹದಂತಾಗ ಮಾಡಿ ದೇವರೊಂದಿಗೆ ಸಮಾಧಾನ ಪಡಿಸಿದ್ದಾನೆ. ೧೭ ಇದಲ್ಲದೆ ಆತನು ಬಂದು

ದೂರವಾಗಿದ್ದ ನಿಮಗೂ ಸಮಾಧಾನವನ್ನು ಮತ್ತು ಸಮೀಪವಾಗಿದ್ದವರಿಗೂ ಸಮಾಧಾನವನ್ನು
ಸಾರಿದನು. ೧೮ ಆತನ ಮೂಲಕ ನಾವೂ ನೀವೂ ಒಬ್ಬ ಆತ್ಮನನ್ನೇ ಹೊಂದಿದವರಾಗಿ ತಂದೆಯ
ಬಳಿಗೆ ಪ್ರವೇಶಿಸುವದಕ್ಕೆ ಮಾರ್ಗವಾಯಿತು. ೧೯ ಹೀಗಿರಲಾಗಿ ನೀವೂ ಇನ್ನು ಮೇಲೆ
ಪರದೇಶದವರೂ ಅನ್ಯರೂ ಆಗಿರದೇ ದೇವಜನರೊಂದಿಗೆ ಒಂದೇ ಸಂಸ್ಥಾನದವರೂ ದೇವರ
ಮನೆಯವರೂ ಆಗಿದ್ದೀರಿ. ೨೦ ಅಪೊಸ್ತಲರೂ ಪ್ರವಾದಿಗಳೂ ಎಂಬ ಅಸ್ತಿವಾರದ ಮೇಲೆ
ನೀವೂ ಮಂದಿರದೋಪಾದಿಯಲ್ಲಿ ಕಟ್ಟಲ್ಪಟ್ಟಿದ್ದೀರಿ. ೨೧ ಯೇಸು ಕ್ರಿಸ್ತನೇ ಮುಖ್ಯವಾದ
ಮೂಲೆಗಲ್ಲು. ಆತನಲ್ಲಿ ಕಟ್ಟಡದ ಎಲ್ಲಾ ಭಾಗಗಳು ಒಂದಕ್ಕೊಂದು ಹೊಂದಿಕೆಯಾಗಿ ಕಟ್ಟಡವು
ವೃದ್ಧಿಯಾಗುತ್ತಾ ಕರ್ತನಲ್ಲಿ ಪರಿಶುದ್ಧ ದೇವಾಲಯವಾಗುತ್ತದೆ. ೨೨ ಆತನಲ್ಲಿ ನೀವೂ ಸಹ
ಪವಿತ್ರಾತ್ಮನ ಮೂಲಕವಾಗಿ ದೇವರಿಗೆ ನಿವಾಸಸ್ಥಾನವಾಗುವದಕ್ಕಾಗಿ ನಮ್ಮ ಸಂಗಡ ಕಟ್ಟಲ್ಪಡುತ್ತಾ
ಇದ್ದೀರಿ.

### ಪೌಲನು ತಾನು ಮೇಲ್ಕಂಡ ಸತ್ಯಾರ್ಥವನ್ನು ಪ್ರಕಟಿಸುವದಕ್ಕೆ ನೇಮಕವಾದವನೂ ಅದರ ನಿಮಿತ್ತವೇ ಸೆರೆಬಿದ್ದವನೂ ಆಗಿದ್ದೇನೆಂದು ಹೇಳಿ ಅನ್ಯಜನರಾದ ಕ್ರೈಸ್ತರಿಗೋಸ್ಕರ ಪ್ರಾರ್ಥನೆ ಮಾಡಿದ್ದು.

೩ ೧ ಹೀಗಿರುವದರಿಂದ ಅನ್ಯಜನರಾಗಿರುವ ನಿಮ್ಮ ನಿಮಿತ್ತ ಕ್ರಿಸ್ತ ಯೇಸುವಿನ
ಸೆರೆಯವನಾದ ಪೌಲನೆಂಬ ನಾನು ನಿಮಗೋಸ್ಕರ ಪ್ರಾರ್ಥಿಸುತ್ತೇನೆ. ೨-೩ ನಿಮಗೋಸ್ಕರ
ನಿರ್ವಹಿಸುವದಕ್ಕಾಗಿ ದೇವರು ನನಗೆ ಕೃಪೆಯಾಗಿ ಕೊಟ್ಟ ಕೆಲಸವನ್ನು ಇದುವರೆಗೆ
ಗುಪ್ತವಾಗಿದ್ದ ಒಂದು ಸಂಗತಿ ದೈವ ಪ್ರಕಟಣೆಯಿಂದ ನನಗೆ ತಿಳಿಸಲ್ಪಟ್ಟಿದೆಂಬದನ್ನೂ
ನೀವು ಕೇಳಿದ್ದೀರಲ್ಲಾ. ಅದನ್ನು ಕುರಿತು ನಾನು ಹಿಂದೆ ಸಂಕ್ಷೇಪವಾಗಿ ಬರೆದಿದ್ದೇನೆ.
೪ ಬರೆದದ್ದನ್ನು ಓದಿನೋಡಿದರೆ ಕ್ರಿಸ್ತನ ವಿಷಯವಾದ ಮರ್ಮವನ್ನು ಕುರಿತು ನನಗಿರುವ
ಗ್ರಹಿಕೆಯನ್ನು ನೀವು ತಿಳುಕೊಳ್ಳಬಹುದು. ೫ ಆ ಮರ್ಮವು ಈಕಾಲದಲ್ಲಿ ದೇವರ ಪರಿಶುದ್ಧ
ಅಪೊಸ್ತಲರಿಗೂ ಪ್ರವಾದಿಗಳಿಗೂ ಪವಿತ್ರಾತ್ಮನಿಂದ ತಿಳಿಸಲ್ಪಟ್ಟಂತೆ ಬೇರೆ ಕಾಲಗಳಲ್ಲಿದ್ದ
ಜನರಿಗೆ ತಿಳಿಸಲ್ಪಡಲಿಲ್ಲ. ೬ ಅದು ಯಾವದೆಂದರೆ ಅನ್ಯ ಜನರು ಸುವಾರ್ತೆಯ ಮೂಲಕ
ಕ್ರಿಸ್ತ ಯೇಸುವಿನಲ್ಲಿರುವವರಾಗಿ ಯೆಹೂದ್ಯರೊಂದಿಗೆ ಬಾಧ್ಯರೂ ಒಂದೇ ದೇಹದೊಳಗಣ
ಅಂಗಗಳೂ ಅಬ್ರಃಅಮನಿಗಿಂಟಾದ ವಾಗ್ದಾನದಲ್ಲಿ ಪಾಲುಗಾರರು ಆಗಿದ್ದಾರೆಂಬದೇ. ೭ ದೇವರು
ತನ್ನ ಶಕ್ತಿಯ ಪ್ರಯೋಗದಲ್ಲಿ ನನಗೆ ಉಚಿತಾರ್ಥವಾಗಿ ಅನುಗ್ರಹಿಸಿದ ಕೆಲಸವನ್ನನುಸರಿಸಿ
ನಾನು ಈ ಸುವಾರ್ತೆಗೆ ಸೇವಕನಾದೆನು. ೮-೯ ನಾನು ಕ್ರಿಸ್ತನ ಅಪ್ರಮೇಯವಾದ ಐಶ್ವರ್ಯದ
ವಿಷಯವಾದ ಶುಭಸಮಾಚಾರವನ್ನು ಅನ್ಯಜನರಿಗೆ ಪ್ರಸಿದ್ಧಿ ಪಡಿಸುವ ಹಾಗೆಯೂ ಸಮಸ್ತವನ್ನು
ಸೃಷ್ಟಿಸಿದ ದೇವರಲ್ಲಿ ಆದಿಯಿಂದ ಮರೆಯಾಗಿದ್ದ ಮರ್ಮವು ಪ್ರಕಟವಾಗುವ ವಿಧ ಎಂಥದೆಂದು
ತಿಳಿಸುವ ಹಾಗೆಯೂ ದೇವಜನರೊಳಗೆ ಅತ್ಯಲ್ಪನಾದ ನನಗೆ ಅನುಗ್ರಹಿಸಿಕೊಣವಾಯಿತು.
೧೦-೧೧ ದೇವರು ನಮ್ಮ ಕರ್ತನಾದ ಕ್ರಿಸ್ತ ಯೇಸುವಿನಲ್ಲಿ ಅನಾದಿ ಕಾಲದಿಂದ ಮಾಡಿದ ಸಂಕಲ್ಪದ
ಮೇರೆಗೆ ತನ್ನ ನಾನಾ ವಿಧವಾದ ಜ್ಞಾನವು ಪರಲೋಕದಲ್ಲಿ ರಾಜತ್ವಗಳಿಗೂ ಅಧಿಕಾರಿಗಳಿಗೂ
ಈಗ ಕ್ರೈಸ್ತ ಸಭೆಯ ಮೂಲಕ ಗೊತ್ತಾಗಬೇಕೆಂಬದನ್ನು ಉದ್ದೇಶಿಸಿದನು. ೧೨ ದೇವರ ಸಾನಿಧ್ಯ
ಸೇರುವದಕ್ಕೆ ನಮಗಿರುವ ಭರವಸವುಳ್ಳ ಧೈರ್ಯವು ಕ್ರಿಸ್ತನಲ್ಲಿ ಇಟ್ಟಿರುವ ನಂಬಿಕೆಯ ಮೂಲಕ
ಆತನಲ್ಲಿಯೇ ನಮಗೆ ಉಂಟಾಯಿತು. ೧೩ ಆದದರಿಂದ ನಿಮ್ಮ ನಿಮಿತ್ತ ನನಗೆ ಉಂಟಾದ
ಕಷ್ಟಗಳನ್ನು ನೋಡಿ ನೀವು ಧೈರ್ಯಗೆಡಬಾರದೆಂದು ನಿಮ್ಮನ್ನು ಬೇಡಿಕೊಳ್ಳುತ್ತೇನೆ. ಈ
ಕಷ್ಟಗಳು ನಿಮಗೆ ಘನವನ್ನು ಉಂಟುಮಾಡುತ್ತವೆ.
೧೪-೧೫ ಹೀಗಿರನಾಗಿ ಯಾವ ತಂದೆಯಿಂದ ಭೂಪರಲೋಕಗಳಲ್ಲಿರುವ ಪ್ರತಿ ಜನವೂ ಹೆಸರು
ತೆಗೆದುಕೊಳ್ಳುದ್ದದೋ ಆ ತಂದೆಯ ಮುಂದೆ ನಾನು ಮೊಣಕಾಲೂರಿಕೊಂಡು- ೧೬ ನೀವು
ದೇವರಾತ್ಮನ ಮೂಲಕ ಆಂತರ್ಯದಲ್ಲಿ ವಿಶೇಷಬಲ ಹೊಂದಿದವರಾಗುವ ಹಾಗೆಯೂ,
೧೭ ಕ್ರಿಸ್ತನು ನಿಮ್ಮ ನಂಬಿಕೆಯ ಮೂಲಕ ನಿಮ್ಮ ಹೃದಯಗಳಲ್ಲಿ ವಾಸಮಾಡುವ ಹಾಗೆಯೂ
ಆತನು ತನ್ನ ಮಹಿಮಾತಿಶಯದ ಪ್ರಕಾರ ಅನುಗ್ರಹಿಸಲಿ. ೧೮ ನೀವು ದೇವರ ಪ್ರೀತಿಯಲ್ಲಿ
ನೆಲೆಗೊಂಡು ನಿಂತು ಅದರ ಅಗಲ ಉದ್ದ ಎತ್ತರ ಆಳ ಎಷ್ಟೆಂಬದನ್ನು ದೇವಜನರೆಲ್ಲರೊಂದಿಗೆ
ಗ್ರಹಿಸಲೂ ಜ್ಞಾವಕ್ಕೆ ಮೀರುವ ಕ್ರಿಸ್ತನ ಪ್ರೀತಿಯನ್ನು ತಿಳುಕೊಳ್ಳನೂ ಪೂರ್ಣ ಶಕ್ತರಾಗಿದ್ದು
ದೇವರ ಸಂಪೂರ್ಣತೆಯ ಮಟ್ಟಿಗೂ ಪರಿಪೂರ್ಣರಾಗುವ ಹಾಗೆ ನಿಮಗೆ ದಯಪಾಲಿಸಲಿ ಎಂದು
ಆತನನ್ನು ಬೇಡಿಕೊಳ್ಳುತ್ತೇನೆ.

೨೦ ನಮ್ಮಲ್ಲಿ ಕಾರ್ಯ ಸಾಧಿಸುವ ತನ್ನ ಶಕ್ತಿಯ ಪ್ರಕಾರ ನಾವು ಬೇಡುವದಕ್ಕಿಂತಲೂ
ಯೋಚಿಸುವದಕ್ಕಿಂತಲೂ ಅತ್ಯಧಿಕವಾದದ್ದನ್ನು, ೨೧ ಮಾಡಲು ಶಕ್ತನಾದ ದೇವರಿಗೆ
ಸಭೆಯಲ್ಲಿಯೂ ಕ್ರಿಸ್ತ ಯೇಸುವಿನಲ್ಲಿಯೂ ತಲತಲಾಂತರಕ್ಕೂ ಯುಗಯುಗಾಂತರಕ್ಕೂ ಸ್ತೋತ್ರ.
ಆಮೆನ್

### ಸಭೆಯವರಿಗೆ ನಾನಾ ವರಗಳಿದ್ದರೂ ಎಲ್ಲರೂ ಐಕ್ಯವಾಗಿಬೇಕು.

೪ ೧ ನೀವು ದೇವರಿಂದ ಕರೆಯಲ್ಪಟ್ಟವರಾದ ಕಾರಣ ಯೋಗ್ಯರಾಗಿ ನಡೆದುಕೊಳ್ಳಬೇಕೆಂದು
ಕರ್ತವ ಸೇವೆಯಲ್ಲಿ ಸೆರೆಯವನಾದ ವಾನು ನಿಮ್ಮನ್ನು ಪ್ರಬೋಧಿಸುತ್ತೇನೆ. ೨ ನೀವು
ಪೂರ್ಣ ವಿನಯ ಸಾತ್ವಿಕತ್ವಗಳಿಂದಲೂ ದೀರ್ಘಶಾಂತಿಯಿಂದಲೂ ಕೂಡಿದವರಾಗಿ
೩ ಪ್ರೀತಿಯಿಂದ ಒಬ್ಬರನ್ನೊಬ್ಬರು ಸಹಿಸಿಕೊಳ್ಳಿರಿ. ಸಮಾದಾನವೆಂಬ ಬಂದನದಿಂದ
ಕಟ್ಟಲ್ಪಟ್ಟವರಾಗಿದ್ದು ಪವಿತ್ರಾತ್ಮನಿಂದುಟಾಗುವ ಐಕ್ಯವನ್ನು ಕಾಪಾಡಿಕೊಳ್ಳುವದಕ್ಕೆ ಆಸಕ್ತರಾಗಿರಿ.
೪ ನೀವೆಲ್ಲರೂ ಒಂದೇ ದೇಹಕ್ಕೆ ಸೇರಿದವರು ಒಬ್ಬನೇ ಆತ್ಮನನ್ನು ಹೊಂದಿದವರು. ೫ ಒಂದೇ
ಪದವಿಯನ್ನು ನಿರೀಕ್ಷಿಸುವದಕ್ಕೆಕರೆಯಲ್ಪಟ್ಟವರು ನಿಮ್ಮೆಲ್ಲರಿಗೂ ಕರ್ತನು ಒಬ್ಬನೇ. ಭರವಸವು
ಒಂದೇ.ಸ್ನಾನದೀಕ್ಷೆ ಒಂದೇ ೬ ಎಲ್ಲರಿಗೂ ತಂದೆಯಾಗಿರುವ ದೇವರು ಒಬ್ಬನೇ, ಆತನು ಎಲ್ಲರ
ಮೇಲಿರುವವನೂ ಎಲ್ಲರ ಮುಖಾಂತರ ಕಾರ್ಯನಡಿಸುವವನೂ ಎಲ್ಲರಲ್ಲಿ ವಾಸಿಸುವವನೂ
ಆಗಿದ್ದಾನೆ.
೭ ಆದರೆ ಕ್ರಿಸ್ತನು ನಮ್ಮಲ್ಲಿ ಒಬ್ಬೊಬ್ಬರಿಗೆ ಅನುಗ್ರಹಿಸಿದ ಪ್ರಕಾರವೇ ಅವನವನಿಗೆ
ಕೃಪಾವರವು ದೊರಕಿದೆ ಆದುದರಿಂದ ೮ ಆತನು ಉನ್ನತ ಸ್ಥಾನಕ್ಕೆ ಏರಿದಾಗ ತಾನು ಜಯಿಸಿದ
ಬಹು ಜನರನ್ನು ಸೆರೆ ಹಿಡುಕೊಂಡು ಹೋಗಿ ಮನುಷ್ಯರಿಗೆ ದಾನಗಳನ್ನು ಮಾಡಿದನು.
ಎಂಬದಾಗಿ ಪ್ರವಾದಿಯು ಹೇಳುತ್ತಾನೆ. ೯ ಏರಿಹೋದನೆಂದು ಹೇಳಿದ್ದರಲ್ಲಿ ಭೂಮಿಯ
ಅಧೋಭಾಗಕ್ಕೆ ಇಳಿದಿದ್ದನೆಂತಲೂ ಹೇಳಿದ ಹಾಗಾಯಿತಲ್ಲಾ. ೧೦ ಇಳಿದು ಬಂದವನು
ಮೇಲಣ ಎಲ್ಲಾ ಲೋಕಗಳಿಗಿಂತ ಉನ್ನತವಾಗಿ ಏರಿಹೋದವನೇ. ಆದದರಿಂದ ಸಮಸ್ತ
ಲೋಕಗಳನ್ನು ತುಂಬಿದವನಾದನು. ೧೧ ಆತನು ಕೆಲವರನ್ನು ಅಪೊಸ್ತಲರನ್ನಾಗಿಯೂ
ಕೆಲವರನ್ನು ಪ್ರವಾದಿಗಳನ್ನಾಗಿಯೂ ಕೆಲವರನ್ನು ಸೌವಾರ್ತಿಕರನ್ನಾಗಿಯೂ ಕೆಲವರನ್ನು
ಸಭಾಪಾಲಕರನ್ನಾಗಿಯೂ ಉಪದೇಶಿಗಳನ್ನಾಗಿಯೂ ಅನುಗ್ರಹಿಸಿದನು. ೧೨ ನಾವೆಲ್ಲರೂ
ನಂಬಿಕೆಯಿಂದಲೂ ದೇವಕುಮಾರನ ವಿಷಯವಾದ ಜ್ಞಾನದಿಂದಲೂ ಉಂಟಾಗುವ ಐಕ್ಯವನ್ನು
ಹೊಂದಿ ಪ್ರವೀಣತೆಗೆ ಬಂದವರಾಗಿ ಕ್ರಿಸ್ತ ಪರಿಪೂರ್ಣತೆಯೆಂಬ ಪ್ರಮಾಣವನ್ನು ಮುಟ್ಟುವತನಕ
, ೧೩ ದೇವಜನರನ್ನು ಯೋಗ್ಯಸ್ಥಿತಿಗೆ ತರುವ ಕೆಲಸಕ್ಕೋಸ್ಕರವೂ ಸಭೆಯ ಸೇವೆಗೋಸ್ಕರವೂ
ಕ್ರಿಸ್ತನ ದೇಹವು ಅಬಿವೃದ್ದಿಯಾಗಿವದಕ್ಕೋಸ್ಕರವೂ ಆತನು ಇವರನ್ನು ಅನುಗ್ರಹಿಸಿದನು. ೧೪ ನಾವು
ಇನ್ನು ಮೇಲೆ ಕೂಸುಗಳಾಗಿರಬಾರದು ದುರ್ಜನರ ವಂಚನೆಗೂ ದುಭೋರ್ಧಕರ ಕುಯುಕ್ತಿಗೂ
ಒಳಬಿದ್ದು ನಾನಾ ಉಪದೇಶಗಳಿಂದ ಕಂಗೆಟ್ಟು ಗಾಳಿಯಿಂದ ಅತ್ತಿತ್ತ ನೂಕಿಸಿಕೊಂಡು
ಹೋಗುವವರ ಹಾಗಿರಬಾರದು. ೧೫ ಪ್ರೀತಿಯಿಂದ ಸತ್ಯವನ್ನನುಸರಿಸುತ್ತಾ ಬೆಳೆದು ಎಲ್ಲಾ
ವಿಷಯಗಳಲ್ಲಿಯೂ ಕ್ರಿಸ್ತನ ಐಕ್ಯವನ್ನು ಹೊಂದುತ್ತಾ ಬರಬೇಕು. ೧೬ ಆತನೇ ಶಿರಸ್ಸು ದೇಹವೆಲ್ಲಾ
ಆತನ ಧೊರೆತನದಲ್ಲಿದ್ದು ತನ್ನಲ್ಲಿರುವ ಎಲ್ಲಾ ನರಗಳಿಂದ ಬಿಗಿಯಾಗಿ ಜೋಡಿಸಲ್ಪಟ್ಟು ಪ್ರತಿ
ಅಂಗದಿಂದ ಅದರದರ ಶಕ್ತಿಯ ಪ್ರಕಾರ ಸಹಾಯ ಹೊಂದಿ ಪ್ರೀತಿಯಿಂದ ಐಕ್ಯವಾಗಿದ್ದು
ಕ್ಷೇಮಾಭಿವೃದ್ದಿಯನ್ನು ಹೊಂದುತ್ತದೆ.

### ದೇವರಿಂದ ಆರಿಸಿಕೊಂಡವರು ಅಜ್ಞಾನಿಗಳ ದುರ್ನಡತೆಯನ್ನು ಬಿಟ್ಟು ಬಿಟ್ಟು ಯೋಗ್ಯರಾಗಿ ನಡೆಯಬೇಕು

(ಕೊಲೊ ೩ ೫- ೧೭)

೧೭ ಆದದರಿಂದ ಅನ್ಯ ಜನರು ನಡೆದುಕೊಳ್ಳುವ ಪ್ರಕಾರ ನೀವು ಇನ್ನು ಮೇಲೆ
ನಡೆದುಕೊಳ್ಳಬಾರದೆಂದು ಕರ್ತನಲ್ಲಿರುವವನಾಗಿ ನಿಮಗೆ ಖಂಡಿತವಾಗಿ ಹೇಳುತ್ತೇನೆ.
೧೮ ಅವರು ನಿಷ್ಪ್ರಯೋಜನವಾದ ಬುದ್ದಿಯುಳ್ಳವರಾಗಿ ನಡೆದುಕೊಳ್ಳುತ್ತಾರೆ. ಅವರ ಮನಸ್ಸು
ಮೊಬ್ಬಾಗಿ ಹೋಗಿದೆ. ಅವರು ತಮ್ಮ ಹೃದಯದ ಕಾಠಿಣ್ಯದ ನಿಮಿತ್ತದಿಂದಲೂ ತಮ್ಮಲ್ಲಿರುವ
ಅಜ್ಞಾನದ ನಿಮಿತ್ತದಿಂದಲೂ ದೇವರಿಂದಾಗುವ ಜೀವಕ್ಕೆ ಅನ್ಯರಾಗಿದ್ದಾರೆ. ೧೯ ಅವರು
ತಮ್ಮ ದುಸ್ಥಿತಿಗಾಗಿ ಸ್ವಲ್ಪವೂ ಚಿಂತಿಸದೇ ತಮ್ಮನ್ನು ಬಂಡುತನಕ್ಕೆ ಒಪ್ಪಿಸಿಕೊಟ್ಟು ಎಲ್ಲಾ

ವಿಧವಾದ ಅಶುದ್ಧಕೃತ್ಯಗಳನ್ನು ಅತ್ಯಾಶೆಯಿಂದ ನಡಿಸುವವರಾಗಿದ್ದಾರೆ. ೨೦ ನೀವಾದರೂ
ಕ್ರಿಸ್ತನ ಧರ್ಮವನ್ನು ಅಂಥದೆಂದು ಕಲಿತುಕೊಳ್ಳಲಿಲ್ಲ. ೨೧ ಆತನನ್ನೆ ಕೇಳಿದಿರಲ್ಲಾ
ಆತನಲ್ಲಿಯೇ ಉಪದೇಶವನ್ನು ಹೊಂದಿದಿರಲ್ಲಾ . ೨೨ ಯೇಸುವಿನಲ್ಲಿರುವ ಸತ್ಯೋಪದೇಶವು
ಯಾವದೆಂದರೆ ನೀವು ನಿಮ್ಮ ಹಿಂದಿನ ನಡತೆಯನ್ನು ಅನುಸರಿಸದೇ ಪೂರ್ವಸ್ವಭಾವವನ್ನು
ತೆಗೆದುಹಾಕಿಬಿಡಬೇಕು. ಅದು ಮೋಸಕರವಾದ ದುರಾಶೆಗಳಿಂದ ಕೆಟ್ಟುಹೋಗುವಂಥದ್ದು.
೨೩ ನೀವು ನಿಮ್ಮ ಆಂತರ್ಯದಲ್ಲಿ ಹೊಸಬರಾಗಿ ನೂತನ ಸ್ವಭಾವವನ್ನು ಧರಿಸಿಕೊಳ್ಳಿರಿ. ೨೪ ಆ
ಸ್ವಭಾವವು ದೇವರ ಹೋಲಿಕೆಯ ಮೇರೆಗೆ ಸತ್ಯಾನುಗುಣವಾದ ನೀತಿಯುಳ್ಳದ್ದಾಗಿಯೂ
ನಿರ್ಮಿಸಲ್ಪಟ್ಟಿದೆ. ೨೫ ಆದಕಾರಣ ಸುಳ್ಳಾಡುವದನ್ನು ಬಿಟ್ಟು ಬಿಟ್ಟು ಪ್ರತಿಯೊಬ್ಬನು ತನ್ನ
ನೆರೆಯವನ ಸಂಗಡ ಸತ್ಯವನ್ನೇ ಆಡಲಿ. ನಾವು ಒಬ್ಬರಿಗೊಬ್ಬರು ಅಂಗಗಳಾಗಿದ್ದೇವಲ್ಲಾ.
೨೬ ಕೋಪಮಾಡಬೇಕಾದರೂ ಪಾಪಮಾಡಬೇಡಿರಿ. ಸೂರ್ಯನು ಮುಳುಗುವದಕ್ಕಿಂತ ಮುಂಚೆ
ನಿಮ್ಮ ಸಿಟ್ಟು ತೀರಲಿ ೨೭ ಸೈತಾನನಿಗೆ ಅವಕಾಶಕೊಡಬೇಡಿರಿ. ೨೮ ಕಳವು ಮಾಡುವವನು
ಇನ್ನು ಮೇಲೆ ಕಳವು ಮಾಡದೇ ಕೈಯಿಂದ ಯಾವದೊಂದು ಒಳ್ಳೇ ಉದ್ಯೋಗವನ್ನು ಮಾಡಿ
ದುಡಿಯಲಿ.ಆಗ ಕಷ್ಟದಲ್ಲಿರುವವರಿಗೆ ಕೊಡುವದಕ್ಕೆ ಅವನಿಂದಾಗುವದು. ೨೯ ನಿಮ್ಮ
ಬಾಯೊಳಗಿಂದ ಯಾವ ಕೆಟ್ಟ ಮಾತೂಹೊರಡಬಾರದು. ಭಕ್ತಿಯನ್ನು ವೃದ್ಧಿ ಮಾಡುವ
ಕಾಲೋಚಿತವಾದ ಮಾತು ಇದ್ದರೆ ಕೇಳುವವರ ಹಿತಕ್ಕಾಗಿ ಅದನ್ನು ಆಡಿರಿ. ೩೦ ದೇವರ
ಪವಿತ್ರಾತ್ಮವನ್ನು ದುಃಖಿಸಬೇಡಿರಿ.ಆತನಲ್ಲಿಯೇ ವಿಮೋಚನೆಯ ದಿನಕ್ಕಾಗಿ ಮುದ್ರೆ
ಹೊಂದಿದ್ದೀರಲ್ಲಾ. ೩೧ ಎಲ್ಲಾ ದ್ವೇಷ ಕೋಪ ಕ್ರೋಧ ಕಲಹ ದೂಷಣೆ ಇವುಗಳನ್ನೂ ಸಕಲ ವಿಧವಾದ
ದುಷ್ಟತನವನ್ನೂ ನಿಮ್ಮಿಂದ ದೂರ ಮಾಡಿರಿ. ೩೨ ಒಬ್ಬರಿಗೊಬ್ಬರು ಉಪಕಾರಿಗಳಾಗಿಯೂ
ಕರುಣೆಯುಳ್ಳವರಾಗಿಯೂ ಕ್ಷಮಿಸುವವರಾಗಿಯೂ ಇರ್ರಿ. ದೇವರು ನಿಮಗೆ ಕ್ರಿಸ್ತನಲ್ಲಿ
ಕ್ಷಮಿಸಿದನಲ್ಲಾ.

೫ ೧ ಆದುದರಿಂದ ಪ್ರೀಯರಾದ ಮಕ್ಕಳಿಗೆ ತಕ್ಕ ಹಾಗೆ ಆತನನ್ನು ಅನುಸರಿಸುವವರಾಗಿರಿ.
೨ ಕ್ರಿಸ್ತನು ನಿಮ್ಮನ್ನು ಪ್ರೀತಿಸಿ ನಮ್ಮೆಲ್ಲರಿಗೋಸ್ಕರ ತನ್ನನ್ನೇ ದೇವರಿಗೆ
ಸುಗಂಧವಾಸನೆಯಾದ ಕಾಣಿಕೆಯಾಗಿಯೂ ಯಜ್ಞವಾಗಿಯೂ ಸಮರ್ಪಿಸಿಕೊಂಡ ಪ್ರಕಾರ
ನೀವೂ ಪ್ರೀತಿಯಲ್ಲಿ ನಡೆದುಕೊಳ್ಳಿರಿ.

೩ ಜಾರತ್ವ ಯಾವ ವಿಧವಾದ ಬಂಡುತನ ದ್ರವ್ಯಾಶೆ ಇವುಗಳ ಸುದ್ದಿಯಾದರೂ ನಿಮ್ಮಲ್ಲಿ
ಇರಬಾರದು. ಇವುಗಳಿಗೆ ದೂರವಾಗಿರುವದೇ ದೇವಜನರಿಗೆ ಯೋಗ್ಯವಾದದ್ದು ೪ ಹೊಲಸು
ಮಾತು ಹುಚ್ಚು ಮಾತು ಕುಚೋದ್ಯ ಮಾತುಇವು ಬೇಡ.ಅಯುಕ್ತವಾಗಿವೆ. ೫ ಇವುಗಳನ್ನು
ಬಿಟ್ಟು ದೇವರಿಗೆ ಉಪಕಾರಸ್ತುತಿ ಮಾಡುವದು ಉತ್ತಮ. ಜಾರರು ದುರಾಚಾರಿಗಳು
ವಿಗ್ರಹಾರಾದಕರಂತಿರುವಲೋಭಿಗಳುಇವರಲ್ಲಿ ಒಬ್ಬರಿಗಾದರೂ ಕ್ರಿಸ್ತ ಮತ್ತು ದೇವರ
ರಾಜ್ಯದಲ್ಲಿ ಭಾದ್ಯತೆ ಇಲ್ಲವೇ ಇಲ್ಲವೆಂದು ನೀವು ಚೆನ್ನಾಗಿ ಬಲ್ಲಿರಲ್ಲವೇ. ೬ ಹುರುಳಿಲ್ಲದ
ಮಾತುಗಳನ್ನಾಡುವವರಿಗೆ ಕಿವಿಗೊಟ್ಟು ಮೋಸಹೋಗಬೇಡಿರಿ. ಅಂಥ ಕೃತ್ಯಗಳ ನಿಮಿತ್ತದಿಂದ
ದೇವರ ಕೋಪವು ಆತನಿಗೆ ಅವಿಧೇಯರಾಗಿರುವವರ ಮೇಲೆ ಬರುತ್ತದೆ. ೭ ನೀವು
ಅವರೊಂದಿಗೆ ಪಾಲುಗಾರರಾಗಬೇಡಿರಿ.

೮ ನೀವು ಹಿಂದಿನ ಕಾಲದಲ್ಲಿ ಕತ್ತಲೆಯಾಗಿದ್ದಿರಿ. ಆದರೆ ಈಗ ನೀವು ಕ್ರಿಸ್ತನಲ್ಲಿದ್ದು
ಬೆಳಕಾಗಿದ್ದೀರಿ. ಬೆಳಕಿನವರಂತೆ ನಡೆದುಕೊಳ್ಳಿರಿ. ೯ ಬೆಳಕಿನ ಫಲವು ಉಪಕಾರದಲ್ಲಿಯೂ
ನೀತಿಯಲ್ಲಿಯೂ ಸತ್ಯದಲ್ಲಿಯೂ ಕಾಣಿಸಿಕೊಳ್ಳುತ್ತದೆ. ೧೦ ಕರ್ತನಿಗೆ ಮೆಚ್ಚಿಕೆಯಾದದ್ದು
ಏನೆಂಬದನ್ನು ಪರಿಶೋಧಿಸಿ ತಿಳುಕೊಳ್ಳಿರಿ. ೧೧ ಕತ್ತಲೆಗೆ ಸಂಬಂಧವಾದ ಕೃತ್ಯಗಳಿಂದ ಯಾವ
ಪ್ರಯೋಜನವೂ ಬರಲಾರದು. ಅವುಗಳಲ್ಲಿ ಪಾಲುಗಾರರಾಗಿರದೆ ಅವುಗಳನ್ನು ಬೈಲಿಗೆ ತಂದು
ಖಂಡಿಸಿರಿ. ೧೨ ಆ ಜನರು ರಹಸ್ಯವಾಗಿ ನಡಿಸುವ ಕೆಲಸಗಳನ್ನು ಕುರಿತು ಮಾತಾಡುವದಾದರೂ
ನಾಚಿಕೆಗೆ ಕಾರಣವಾಗಿದೆ. ೧೩ ಬೆಳಕಿನಿಂದ ಎಲ್ಲಾ ಕೃತ್ಯಗಳ ನಿಜಗುಣ ತೋರಿಬರುತ್ತದೆ.
ಅದರಿಂದ ಕೆಟ್ಟದ್ದು ಕೆಟ್ಟದ್ದೇ ಎಂದು ಕಾಣಿಸುವದು. ಪ್ರಕಟವಾಗಿರುವದಲ್ಲಾ ಬೆಳಕಿಗೆ
ಸಂಭಂದವಾದದ್ದು. ಆದದರಿಂದ-
ನಿದ್ರೆ ಮಾಡುವವನೇ ಎಚ್ಚರವಾಗು.
ಸತ್ತವರನ್ನು ಬಿಟ್ಟು ಏಳು
ಕ್ರಿಸ್ತನು ನಿನಗೆ ಪ್ರಕಾಶ ಕೊಡುವನು. ಎಂದು ಹೇಳಿಯದೆ. ೧೫ ಆದಕಾರಣ ನೀವು
ನಡಕೊಳ್ಳುವ ರೀತಿಯನ್ನು ಕುರಿತು ಚೆನ್ನಾಗಿ ನೋಡಿಕೊಳ್ಳಿರಿ. ಜ್ಞಾನವಿಲ್ಲದವರಾಗಿರದೆ

ಜ್ಞಾನವಂತರಾಗಿರ್ರಿ. ೧೬ ಈ ದಿನಗಳು ಕೆಟ್ಟವುಗಳಾಗಿವೆ. ಆದದರಿಂದ ಕಾಲವನ್ನು ಸುಮ್ಮನೇ
ಕಳಕಕೊಳ್ಳದೆ ಅದನ್ನು ಬೆಲೆಯುಳ್ಳದೆಂದು ಉಪಯೋಗಿಸಿಕೊಳ್ಳಿರಿ. ೧೭ ಮತ್ತು
ಬುದ್ಧಿಹೀನರಾಗಿ ನಡೆಯದೆ ಕರ್ತನ ಚಿತ್ತವೇನೆಂಬದನ್ನು ವಿಚಾರಿಸಿ ತಿಳಿದವರಾಗಿರ್ರಿ.
೧೮ ಮದ್ಯಪಾನ ಮಾಡಿ ಮತ್ತರಾಗಬೇಡಿರಿ. ೧೯ ಅದರಿಂದ ಪಟಿಂಗತನ ಹುಟ್ಟುತ್ತದೆ. ಆದರೆ
ಪವಿತ್ರಾತ್ಮಭರಿತರಾಗಿದ್ದು ಕೀರ್ತನೆಗಳಿಂದಲೂ ಆತ್ಮಸಂಬಂಧವಾದ ಪದಗಳಿಂದಲೂ
ಒಬ್ಬರಿಗೊಬ್ಬರು ಮಾತಾಡಿಕೊಳ್ಳುತ್ತ ನಿಮ್ಮ ಹೃದಯಗಳಲ್ಲಿ ಕರ್ತನಿಗೆ ಗಾನಮಾಡುತ್ತಾ,
೨೦ ಕೀರ್ತನೆ ಹಾಡುತ್ತಾ ಯಾವಾಗಲೂ ಎಲ್ಲಾ ಕಾರ್ಯಗಳಿಗೋಸ್ಕರ ನಮ್ಮ ಕರ್ತನಾದ
ಯೇಸು ಕ್ರಿಸ್ತನ ಹೆಸರಿನಲ್ಲಿ ತಂದೆಯಾದ ದೇವರಿಗೆ ಸ್ತೋತ್ರ ಮಡುತ್ತಾ ಕ್ರಿಸ್ತನಿಗೆ
ಭಯಪಡುವವರಾಗಿದ್ದು, ೨೧ ಒಬ್ಬರಿಗೊಬ್ಬರು ವಿನಯವುಳ್ಳವರಾಗಿ ನಡೆದುಕೊಳ್ಳಿರಿ.

## ಗಂಡಹೆಂಡತಿಯರೂ ತಂದೆಗಳೂ ಮಕ್ಕಳೂ ಯಜಮಾನರೂ ದಾಸರೂ ನಡೆಯಬೇಕಾದ ರೀತಿ.

(ಕೊಲೊಸೆ ೩:೧೮-೪ ,೧)

೨೨ ಸ್ತ್ರೀಯರೇ ನೀವು ಕರ್ತನಿಗೆ ಹೇಗೋ ಹಾಗೆಯೇ ನಿಮ್ಮ ನಿಮ್ಮ ಗಂಡಂದಿರಿಗೆ
ಅಧೀನರಾಗಿರಿ. ೨೩ ಕ್ರಿಸ್ತನು ಸಭೆಗೆ ತಲೆಯಾಗಿರುವ ಪ್ರಕಾರವೇ ಗಂಡನು ಹೆಂಡತಿಗೆ
ತಲೆಯಾಗಿದ್ದಾನೆ. ಕ್ರಿಸ್ತನೋ ಸಭೆಯೆಂಬ ದೇಹಕ್ಕೆ ರಕ್ಷಕನಾಗಿದ್ದಾನೆ. ೨೪ ಅದಿರಲಿ ಸಭೆಯು
ಕ್ರಿಸ್ತನಿಗೆ ಹೇಗೆ ಅಧೀನವಾಗಿದೆಯೋ ಹಾಗೆಯೇ ಸ್ತ್ರೀಯರು ತಮ್ಮ ತಮ್ಮ ಗಂಡಂದಿರಿಗೆ
ಎಲ್ಲಾ ವಿಷಯಗಳಲ್ಲಿ ಅಧೀನರಾಗಿರಬೇಕು.
೨೫ ಪುರುಷರೇ ಕ್ರಿಸ್ತನು ಸಭೆಯನ್ನು ಪ್ರೀತಿಸಿದ ಪ್ರಕಾರವೇ ನಿಮ್ಮ ನಿಮ್ಮ ಹೆಂಡತಿಯರನ್ನು
ಪ್ರೀತಿಸಿರಿ.ಆತನು ಅದನ್ನು ಪ್ರತಿಷ್ಠೆಪಡಿಸುವದಕ್ಕಾಗಿ ತನ್ನನ್ನು ಒಪ್ಪಿಸಿಕೊಟ್ಟನು. ೨೬ ಅದನ್ನು
ಕಳಂಕ ಸುಕ್ಕು ಮುಂತಾದದ್ದೊಂದೂ ಇಲ್ಲದ ಕನ್ನಿಕೆಯೋ ಎಂಬಂತೆ ಪರಿಶುದ್ದವೂ ನಿರ್ದೋಷವೂ
ಮಹಿಮೆಯುಳ್ಳದ್ದೂ ಆಗಿರುವ ಸಭೆಯನ್ನಾಗಿ ತನ್ನೆದುರಿನಲ್ಲಿ ನಿಲ್ಲಿಸಿಕೊಳ್ಳಬೇಕೆಂದು
ವಾಕ್ಯೋಪದೇಶ ಸಹಿತವಾದ ಜಲಸ್ನಾನವನ್ನು ಮಾಡಿಸಿ ಶುದ್ಧಮಾಡಿದನು. ೨೮ ಹಾಗೆಯೇ
ಪುರುಷನು ಸಹ ಸ್ವಂತ ಶರೀರವನ್ನು ಪ್ರೀತಿಸಿಕೊಳ್ಳುವ ಪ್ರಕಾರವೇ ತಮ್ಮ ಹೆಂಡತಿಯನ್ನು
ಪ್ರೀತಿಸುವ ಹಂಗಿನವರಾಗಿದ್ದಾರೆ. ತನ್ನ ಹೆಂಡತಿಯನ್ನು ಪ್ರೀತಿಸಿಕೊಳ್ಳುವವನು ತನ್ನನ್ನೇ
ಪ್ರೀತಿಸಿಕೊಳ್ಳುವವನಾಗಿದ್ದಾನೆ. ೨೯ ಯಾರೂ ಎಂದೂ ಸ್ವಶರೀರವನ್ನು ಹಗೆಮಾಡಿದ್ದಿಲ್ಲ.
ಎಲ್ಲರೂ ತಮ್ಮ ಶರೀರಗಳನ್ನು ಪೋಷಿಸಿ ಸಂರಕ್ಷಿಸುತ್ತಾರೆ. ೩೦ ಯಾವ ದೇಹಕ್ಕೆ ನಾವು
ಅಂಗಗಳಾಗಿದ್ದೇವೋ ಸಭೆಯೆಂಬ ಆ ದೇಹವನ್ನು ಕ್ರಿಸ್ತನು ಹಾಗೆಯೇ ಪೋಷಿಸಿ
ಸಂರಕ್ಷಿಸುತ್ತಾನಲ್ಲಾ. ೩೧ ಇದರ ನಿಮಿತ್ತದಿಂದ ಪುರುಷನು ತಂದೆತಾಯಿಗಳನ್ನು ಬಿಟ್ಟು ತನ್ನ
ಹೆಂಡತಿಯನ್ನು ಸೇರಿಕೊಳ್ಳುವನು ಅವರಿಬ್ಬರೂ ಒಂದೇ ಶರೀರವಾಗಿರುವರು. ಎಂದು ಬರೆದದೆ.
೩೨ ನಾನು ಕ್ರಿಸ್ತನಿಗೂ ಸಭೆಗೂ ಇರುವ ಸಂಬಂಧವನ್ನು ಕುರಿತು ಮಾತಾಡುತ್ತಾ ಇದ್ದೇನೆ ಇದುವರೆಗೆ
ಗುಪ್ತವಾಗಿದ್ದ ಈ ಸತ್ಯಾರ್ಥವು ಬಹು ಗಂಭೀರವಾದದ್ದು. ೩೩ ಅದಿರಲಿ ನಿಮ್ಮಲ್ಲಿ ಪ್ರತಿ ಪುರುಷನು
ತನ್ನನ್ನು ಪ್ರೀತಿಸಿಕೊಳ್ಳುವಂತೆಯೇ ತನ್ನ ಹೆಂಡತಿಯನ್ನೂ ಪ್ರೀತಿಸಬೇಕು. ಪ್ರತಿ ಹೆಂಡತಿಯೂ
ತನ್ನ ಗಂಡನಿಗೆ ಭಯಭಕ್ತಿಯಿಂದ ನಡೆದುಕೊಳ್ಳಬೇಕು

೬ ೧ ಮಕ್ಕಳೇ, ನೀವು ಕರ್ತನಲ್ಲಿರುವವರಿಗೆ ತಕ್ಕ ಹಾಗೆ ನಿಮ್ಮ ತಂದೆ ತಾಯಿಗಳ ಮಾತನ್ನು
ಕೇಳಬೇಕು. ಇದು ಧರ್ಮ. ೨ ವಾಗ್ದಾನ ಮಹಿತವಾದ ಮೊದಲನೆಉ ಆಜ್ಞೆಯನಶನು ಕೇಳಿರಿ.
ನಿನ್ನ ತಂದೆತಾಯಿಗಳನ್ನು ಸನ್ಮಾನಿಸಬೇಕು. ೩ ಸನ್ಮಾನಿಸಿದರೆ ನಿನಗೆ ಮೇಲಾಗುವದು. ನೀನು
ಭೂಮಿಯ ಮೇಲೆ ಬಹು ಕಾಲ ಬದುಕುವೆ.
೪ ತಂದೆಗಳೇ, ನಿಮ್ಮ ಮಕ್ಕಳಿಗೆ ಕೋಪವನ್ನೆಬಿಸದೆ ಕರ್ತನಿಗೆ ಮೆಚ್ಚಿಕೆಯಾಗುವ
ಬಾಲಶಿಕ್ಷೆಯನ್ನೂ ಬಾಲೋಪದೇಶವನ್ನೂ ಮಾಡುತ್ತಾ ಅವರನ್ನು ಸಾಕಿ ಸಲಹಿರಿ.
೫ ದಾಸತ್ವದಲ್ಲಿರುವವರೇ, ಈಲೋಕದಲ್ಲಿ ನಿಮಗೆ ಯಜಮಾನರಾಗಿರುವವರಿಗೆ ಕ್ರಿಸ್ತನಿಗೆಂದು
ಮನಶೊಭೀತಿಯಿಂದ ನಡುಗುವವರಾಗಿ ಸರಳ ಹೃದಯರಾಗಿಯೂ ವಿಧೇಯರಾಗಿರಿ.
೬ ಮನುಷ್ಯರನ್ನು ಮೆಚ್ಚಿಸುವವರು ಮಾಡುವ ಪ್ರಕಾರ ಯಜಮಾನರು ನೋಡುತ್ತಿರುವಾಗ ಮಾತ್ರ
ಸೇವೆ ಮಾಡದೇ ಕ್ರಿಸ್ತನ ದಾಸರಿಗೆ ತಕ್ಕ ಹಾಗೆ ದೇವರ ಚಿತ್ತವನ್ನು ಮನಃಪೂರ್ವಕವಾಗಿ
ನಡಿಸಿರಿ. ೭ ಮನುಷ್ಯರಿಗೋಸ್ಕರವಲ್ಲ, ಕರ್ತನಿಗೋಸ್ಕರ ಸೇವೆಮಾಡುತ್ತೇವೆಂದು
ಚಿತ್ತಪೂರ್ವಕವಾಗಿ ಸೇವೆಮಾಡಿರಿ. ೮ ಯಾಕಂದರೆ ಒಬ್ಬನು ದಾಸನಾಗಲಿ ಸ್ವತಂತ್ರನಾಗಲಿ ತಾನು
ಯಾವ ಸತ್ಕಾರ್ಯವನ್ನು ಮಾಡುತ್ತಾನೋ ಅದರ ಪ್ರತಿಫಲವನ್ನು ಕರ್ತನಿಂದ ಹೊಂದುವನೆಂಬದನ್ನು

ನೀವು ತಿಳಿದವರಾಗಿಯೇ ಇದ್ದೀರಿ. ೯ ಯಜಮಾನರೇ ನಿಮ್ಮ ಕೈಕೆಳಗಿರುವ ದಾಸರ
ವಿಷಯದಲ್ಲಿ ಅದೇರೀತಿಯಾಗಿ ನಡೆಯಿರಿ. ಪರಲೋಕದಲ್ಲಿ ನಿಮಗೂ ಅವರಿಗೂ
ಯಜಮಾನನಾಗಿರುವಾತನು ಇದ್ದಾನೆಂತಲೂ ಆತನಲ್ಲಿ ಪಕ್ಷಪಾತವಿಲ್ಲವೆಂತಲೂ ತಿಳಿದು ನಿಮ್ಮ
ದಾಸರನ್ನು ಬೆದರಿಸುವ ಪದ್ಧತಿಯನ್ನು ಬಿಟ್ಟು ಬಿಡಿರಿ.

ಕ್ರೈಸ್ತರು ನಡಿಸುವ ಯುದ್ಧದಲ್ಲಿ ದೇವರು ಕೊಡುವ ಸರ್ವಾಯುಧಗಳು ಅವಶ್ಯವಾಗಿವೆ.

೧೦ ಕಡೇ ಮಾತೇನಂದರೆ, ನೀವು ಕರ್ತನನ್ನೂ ಆತನ ಅಧಿಕವಾದ ಶಕ್ತಿಯನ್ನೂ
ಆಶ್ರಯಿಸಿಕೊಂಡವರಾಗಿ ಬಲಗೊಳ್ಳಿರಿ. ೧೧ ಸೈತಾನನ ತಂತ್ರೋಪಾಯಗಳನ್ನು ನೀವು ಎದುರಿಸಿ
ನಿಲ್ಲುವದಕ್ಕೆ ಶಕ್ತರಾಗುವಂತೆ ದೇವರು ದಯಪಾಲಿಸುವ ಸರ್ವಾಯುಧಗಳನ್ನು ಧರಿಸಿಕೊಳ್ಳಿರಿ.
೧೨ ನಾವು ಹೋರಾಡುವದು ಮನುಷ್ಯಮಾತ್ರದವರ ಸಂಗಡವಲ್ಲ. ರಾಜತ್ವಗಳ ಮೇಲೆಯೂ
ಅಧಿಕಾರಿಗಳ ಮೇಲೆಯೂ ಈ ಅಂಧಕಾರದ ಲೋಕಾಧಿಪತಿಗಳ ಮೇಲೆಯೂ ಆಕಾಶ
ಮಂಡಲದಲ್ಲಿರುವ ದುರಾತ್ಮಗಳ ಸೇನೆಯ ಮೇಲೆಯೂ ನಾವು ಹೋರಾಡುವವರಾಗಿದ್ದೇವೆ.
೧೩ ಆದದರಿಂದ ಕಠಿಣ ಯುದ್ಧವು ನಡೆಯುವ ದಿವಸದಲ್ಲಿ ಆವೈರಿಗಳನ್ನು ಎದುರಿಸುವದಕ್ಕೂ
ಮಾಡಬೇಕಾದದ್ದೆಲ್ಲವನ್ನು ಮಾಡಿ ಜಯಶಾಲಿಗಳಾಗಿ ನಿಲ್ಲುವದಕ್ಕೂ ಶಕ್ತರಾಗುವಂತೆ ದೇವರು
ದಯಪಾಲಿಸುವ ಸರ್ವಾಯುಧಗಳನ್ನು ತೆಗೆದುಕೊಳ್ಳಿರಿ. ೧೪ ಸತ್ಯವೆಂಬ ನಡುಕಟ್ಟನ್ನು
ಕಟ್ಟಿಕೊಂಡು ನೀತಿಯೆಂಬ ವಜ್ರಕವಚವನ್ನು ಧರಿಸಿಕೊಂಡು ೧೫ ಸಮಾಧಾನವದವಿಷಯವಾದ
ಸುವಾರ್ತೆಯನ್ನು ತಿಳಿಸುವದರಲ್ಲಿ ಸಿದ್ಧವಾದ ಮನಸ್ಸೆಂಬ ಕೆರಗಳನ್ನು ಮೆಟ್ಟಿಕೊಂಡು ನಿಲ್ಲಿರಿ.
೧೬ ಮತ್ತು ನಂಬಿಕೆಯೆಂಬ ಗುರಾಣಿಯನ್ನು ಹಿಡುಕೊಳ್ಳಿರಿ. ಅದರಿಂದ ನೀವು ಕೆಡುಕನ
ಬಾಣಗಳನ್ನೆಲ್ಲಾ ಆರಿಸುವದಕ್ಕೆ ಶಕ್ತರಾಗುವಿರಿ. ೧೭ ಇದಲ್ಲದೆ ರಕ್ಷಣೆಯೆಂಬ ಶಿರಸ್ತ್ರಾಣವನ್ನು
ಇಟ್ಟುಕೊಂಡು ಪವಿತ್ರಾತ್ಮನು ಕೊಡುವ ದೇವರ ವಾಕ್ಯವೆಂಬ ಕತ್ತಿಯನ್ನು ಹಿಡಿಯಿರಿ. ೧೮ ನೀವು
ಪವಿತ್ರಾತ್ಮ ಪ್ರೇರಿತರಾಗಿ ಎಲ್ಲಾ ಸಮಯಗಳಲ್ಲಿ ಸಕಲವಿಧವಾದ ಪ್ರಾರ್ಥನೆಯಿಂದಲೂ
ವಿಜ್ಞಾಪನೆಯಿಂದಲೂ ದೇವರನ್ನು ಪ್ರಾರ್ತಿಸಿರಿ. ಇದರಲ್ಲಿ ಪೂರ್ಣ ಸ್ಥಿರಚಿತ್ತರಾಗಿದ್ದು
ದೇವಜನರೆಲ್ಲರ ವಿಷಯದಲ್ಲಿ ವಿಜ್ಞಾಪನೆ ಮಾಡುತ್ತಾ ಎಚ್ಚರವಾಗಿರಿ. ನನಡೋಸ್ಕರ ಸಹ
ಪ್ರಾರ್ಥನೆ ಮಾಡಿರಿ. ೧೯ ನಾನು ಬಾಯಿ ತೆರೆಯುವಾಗ ಪೂರ್ವ ಕಾಲದಲ್ಲಿ ಗುಪ್ತವಾಗಿದ್ದ
ಸುವಾರ್ತಾ ಸತ್ಯಾರ್ಥವನ್ನು ಭಯವಿಲ್ಲದೆ ತಿಳಿಸುವದಕ್ಕೆ ಬೇಕಾದ ಮಾತನ್ನು ದೇವರು ನನಗೆ
ಅನುಗ್ರಹಿಸಬೇಕೆಂದು ಪ್ರಾರ್ಥಿಸಿರಿ. ೨೦ ಆಸತ್ಯಾರ್ಥದ ನಿಮಿತ್ತವೇ ರಾಯಭಾರಿಯಾದ
ನಾನು ಬೇಡಿಯಲ್ಲಿ ಬಿದ್ದಿದ್ದೇನಲ್ಲಾ. ಅದರ ವಿಷಯವಾಗಿ ಧೈರ್ಯವಾಗಿ ಮಾತಾಡುವ
ಹಂಗಿನಲ್ಲಿದ್ದೇನೆ. ಹಾಗೆಯೇ ನಾನು ಮಾತಾಡಬೇಕೆಂದು ನನಗೋಸ್ಕರ ಬೇಡಿಕೊಳ್ಳಿರಿ.

ಕಡೇ ಮಾತುಗಳು.

೨೧ ನನ್ನ ಸಂಗತಿಗಳು ನಿಮಗೆ ಗೊತ್ತಾಗುವ ಹಾಗೆ ಪ್ರಿಯ ಸಹೋದರನೂ ಕರ್ತನಲ್ಲಿ
ನಂಬಿಗಸ್ತನಾದ ಸೇವಕನೂ ಆಗಿರುವ ತುಖಿಕನು ನಿಮಗೆ ಎಲ್ಲವನ್ನೂ ತಿಳಿಸುವನು. ೨೨ ನೀವು
ನಮ್ಮ ಸಮಾಚಾರವನ್ನು ತಿಳುಕೊಳ್ಳುವ ಹಾಗೆಯೂ ಅವನು ನಿಮ್ಮ ಹೃದಯಗಳನ್ನು ಸಂತೈಸುವ
ಹಾಗೆಯೂ ಅವನನ್ನು ನಿಮ್ಮ ಬಳಿಗೆ ಕಳುಹಿಸಿದ್ದೇನೆ.

೨೩ ತಂದೆಯಾದ ದೇವರಿಂದಲೂ ಕರ್ತವಾದ ಯೇಸು ಕ್ರಿಸ್ತನಿಂದಲೂ ಶಾಂತಿಯೂ
ನಂಬಿಕೆಯಿಂದ ಕೂಡಿದ ಪ್ರೀತಿಯೂ ಸಹೋದರರಿಗೆ ಆಗಲಿ. ೨೪ ನಮ್ಮ ಕರ್ತನಾದ ಯೇಸು
ಕ್ರಿಸ್ತನನ್ನು ನಿರಂತರವಾದ ಪ್ರೀತಿಯಿಂದ ಪ್ರೀತಿಸುವವರೆಲ್ಲರ ಮೇಲೆ ದೇವರ ಕೃಪೆಯು ಇರಲಿ.

# ಪೌಲನು ಕೊಲೊಸ್ಸೆಯವರಿಗೆ ಬರೆದ ಪತ್ರಿಕೆ.

೧ ೧ ದೇವರ ಚಿತ್ತಾನುಸಾರವಾಗಿ ಕ್ರಿಸ್ತಯೇಸುವಿನ ಅಪೊಸ್ತಲನಾದ ಪೌಲನೂ ಸಹೋದರನಾದ
ತಿಮೊಥೆಯನೂ ಕೊಲೊಸ್ಸೆಯಲ್ಲಿರುವ ೨ ದೇವಜನರಿಗೆ ಅಂದರೆ ಕ್ರಿಸ್ತನಲ್ಲಿರುವ
ನಂಬಿಗಸ್ತರಾದ ಸಹೋದರರಿಗೆ ಬರೆಯುವದೇನಂದರೆ ನಮ್ಮ ತಂದೆಯಾದ ದೇವರಿಂದ
ನಿಮಗೆ ಕೃಪೆಯೂ ಶಾಂತಿಯೂ ಆಗಲಿ.

೩-೫ ಕ್ರಿಸ್ತ ಯೇಸುವಿನಲ್ಲಿ ನೀವು ಇಟ್ಟ ನಂಬಿಕೆಯ ವಿಷಯವಾಗಿಯೂ ದೇವಜನರ
ಮೇಲಿರುವ ನಿಮ್ಮ ಪ್ರೀತಿಯ ವಿಷಯವಾಗಿಯೂ ನಾವು ಕೇಳಿ ಪರಲೋಕದಲ್ಲಿ ನಿಮಗೋಸ್ಕರ
ಸಿದ್ಧವಾಗಿರುವ ಮಹಾ ಪದವಿಯನ್ನು ನೆನಸುತ್ತಾ ನಾವು ಪ್ರಾರ್ಥನೆ ಮಾಡುವಾಗೆಲ್ಲಾ ನಿಮ್ಮ
ನಿಮಿತ್ತವಾಗಿ ನಮ್ಮ ಕರ್ತನಾದ ಯಾಸು ಕ್ರಿಸ್ತನ ತಂದೆಯಾಗಿರುವ ದೇವರಿಗೆ ಸ್ತೋತ್ರ
ಮಾಡುತ್ತೇವೆ. ನೀವು ಆ ಪದವಿಯನ್ನು ಕುರಿತು ನಿಮ್ಮ ಬಳಿಗೆ ಬಂದಿರುವ ಸುವಾರ್ತೆಯ ಸತ್ಯ
ವಾಕ್ಯದಿಂದ ಮೊದಲೇ ಕೇಳಿದಿರಿ. ೬ ನೀವು ದೇವರ ಕೃಪೆಯನ್ನು ಕುರಿತು ಸತ್ಯಾರ್ಥವನ್ನು ಕೇಳಿ
ತಿಳುಕೊಂಡ ದಿವಸದಿಂದ ಆ ಸುವಾರ್ತೆಯು ನಿಮ್ಮಲ್ಲಿ ಫಲಕೊಟ್ಟು ವೃದ್ಧಿಯಾಗುತ್ತಾ ಬಂದ
ಪ್ರಕಾರ ಲೋಕದಲ್ಲೆಲ್ಲಾ ಹಬ್ಬಿ ಫಲಕೊಟ್ಟು ವೃದ್ಧಿಯಾಗುತ್ತಾ ಬರುತ್ತದೆ. ೭ ನಮ್ಮ ಪ್ರಿಯ ಜೊತೆಯ
ದಾಸನಾದ ಎಪಫ್ರನಿಂದ ಆ ಸತ್ಯೋಪದೇಶವನ್ನು ಕಲಿತುಕೊಂಡಿರಿ. ಅವನು ನಿಮಗೋಸ್ಕರ
ಕ್ರಿಸ್ತನ ನಂಬಿಗಸ್ತನಾದ ಸೇವಕನು. ೮ ಪವಿತ್ರಾತ್ಮಪ್ರೇರಿತವಾದ ನಿಮ್ಮ ಪ್ರೀತಿಯ ವಿಷಯದಲ್ಲಿ
ನನಗೆ ತಿಳಿಸಿದವನು ಆತನೇ.
೯ ಆದಕಾರಣ ನಾವು ನಿಮ್ಮ ಸುದ್ದಿಯನ್ನು ಕೇಳಿದ ದಿವಸದಿಂದ ನಿಮಗೋಸ್ಕರ
ಪ್ರಾರ್ಥಿಸುವದನ್ನು ಬಿಡದೆ ನೀವು ಸಕಲ ಆತ್ಮೀಯ ಜ್ಞಾನವನ್ನೂ ಗ್ರಹಿಕೆಯನ್ನೂ ಹೊಂದಿ,
೧೦ ಕರ್ತನ ಚಿತ್ತದ ವಿಷಯವಾದ ತಿಳುವಳಿಕೆಯಿಂದ ತುಂಬಿಕೊಂಡು ಆತನಿಗೆ ಯೋಗ್ಯರಾಗಿ
ನಡೆದು ಎಲ್ಲಾ ವಿಧದಲ್ಲಿ ಆತನನ್ನು ಸಂತೋಷಪಡಿಸುವವರಾಗಿರಬೇಕಂತಲೂ ನೀವು ಸಕಲ
ಸತ್ಕಾರ್ಯವೆಂಬ ಫಲವನ್ನು ಕೊಡುತ್ತಾ ದೇವಜ್ಞಾನದಿಂದ ಅಭಿವೃದ್ಧಿಯಾಗುತ್ತಿರಬೇಕಂತಲೂ
೧೧ ಆತನ ಮಹಾ ಶಕ್ತಿ ಪ್ರಕಾರ ಪರಿಪೂರ್ಣ ಬಲಹೊಂದಿ ಬಲಿಷ್ಠರಾಗಿ ಆನಂದಪೂರ್ವಕವಾದ
ತಾಳ್ಮೆಯನ್ನೂ ದೀರ್ಘಶಾಂತಿಯನ್ನೂ ಯಾವಾಗಲೂ ತೋರಿಸುವವರಾಗಿಬೇಕಂತಲೂ
೧೨ ಬೆಳಕಿನ ರಾಜ್ಯದೊಳಗೆ ದೇವಜನರ ಭಾದ್ಯತೆಯಲ್ಲಿ ಪಾಲುಗಾರರಾಗುವದಕ್ಕೆ ನಿಮ್ಮನ್ನು
ಯೋಗ್ಯರನ್ನಾಗಿ ಮಾಡಿದ ತಂದೆಗೆ ಕೃತಜ್ಞತಾಸ್ತುತಿ ಮಾಡುವವರಾಗಿರಬೇಕಂತಲೂ ದೇವರನ್ನು
ಬೇಡಿಕೊಳ್ಳುತ್ತೇನೆ.

## ಕ್ರಿಸ್ತನು ಸರ್ವಸೃಷ್ಟಿಗೆ ಉತ್ಕೃಷ್ಟಸ್ಥಾನದಲ್ಲಿದ್ದಾನೆಂಬುವ ಬೋಧನೆ.

೧೩ ದೇವರು ನಮ್ಮನ್ನು ಅಂದಕಾರದ ದೊರೆತನದಿಂದ ಬಿಡಿಸಿ ತನ್ನ ಪ್ರಿಯ ಕುಮಾರನ
ರಾಜ್ಯದೊಳಗೆ ಸೇರಿಸಿದನು. ೧೪ ಆ ಕುಮಾರನಲ್ಲಿ ನಮ್ಮ ಪಾಪಗಳು ಪರಿಹಾರವಾಗಿ ನಮಗೆ
ಬಿಡುಗಡೆಯಾಯಿತು. ೧೫ ಆತನು ಅದೃಶ್ಯನಾದ ದೇವರ ಪ್ರತಿರೂಪನೂ ಸೃಷ್ಟಿಗೆಲ್ಲಾ ಜೇಷ್ಠಪುತ್ರನ
ಸ್ಥಾನಹೊಂದಿದವನೂ ಆಗಿದ್ದಾನೆ. ೧೬ ಭೂಪರಲೋಕಗಳಲ್ಲಿರುವ ದೃಶ್ಯಾದೃಶ್ಯವಾದವುಗಳೆಲ್ಲವೂ
ಸಿಂಹಾಸನಗಳಾಗಲಿ ಪ್ರಭುತ್ವಗಳಾಗಲಿ ಧೊರೆತನಗಳಾಗಲಿಆತನಲ್ಲಿ ಸೃಷ್ಟಿಸಲ್ಪಟ್ಟವು. ಸರ್ವವೂ
ಆತನ ಮುಖಾಂತರವಾಗಿಯೂ ಆತನಿಗೋಸ್ಕರವಾಗಿಯೂ ಸೃಷ್ಟಿಸಲ್ಪಟ್ಟಿತು. ೧೭ ಆತನು ಎಲ್ಲಕ್ಕೂ
ಮೊದಲು ಇದ್ದವನು ಆತನು ಸಮಸ್ತಕ್ಕೂ ಆಧಾರ ಭೂತನು. ಸಭೆಯೆಂಬ ದೇಹಕ್ಕೆ ಆತನು
ಶಿರಸ್ಸು ೧೮ ಸಭೆಯೆಂಬ ದೇಹಕ್ಕೆ ಆತನು ಶಿರಸ್ಸು. ಆತನು ಆದಿಸಂಭೂತನು ಎಲ್ಲಾದರಲ್ಲಿ
ಪ್ರಮುಖನಾಗುವಂತೆ ಸತ್ತವರೊಳಗಿಂದ ಮೊದಲು ಎದ್ದು ಬಂದವನು ಆತನೇ. ೧೯ ತಂದೆಯಾದ
ದೇವರು ಆತನಲ್ಲಿ ತನ್ನ ಸರ್ವಸಂಪೂರ್ಣತೆಯು ವಾಸವಾಗಿರಬೇಕೆಂತಲೂ , ೨೦ ಆತನು ಶಿಲುಬೆಯ
ಮೇಲೆ ಸುರಿಸಿದ ರಕ್ತದಿಂದ ತಾನು ಸಮಾಧಾನವನ್ನುಂಟುಮಾಡಿ ಭೂಪರಲೋಕಗಳಲ್ಲಿರುವ
ಸಮಸ್ತವನ್ನೂ ಆತನ ಮೂಲಕ ತನಗೆ ಸಂದಾನಪಡಿಸಿಕೊಳ್ಳಬೇಕಂತಲೂ ನಿಷ್ಕರ್ಷೆ ಮಾಡಿದನು.
೨೧ ಇದಲ್ಲದೆ ನೀವು ಹಿಂದಿನ ಕಾಲದಲ್ಲಿ ಅನ್ಯರೂ ದುಷ್ಕೃತ್ಯಗಳನ್ನು ಮಾಡುವವರಾಗಿ
ದ್ವೇಷಮನಸ್ಸುಳ್ಳವರೂ ಆಗಿದ್ದರೂ ೨೨ ಆತನು ನಿಮ್ಮನ್ನು ಸಹ ತನ್ನ ಕುಮಾರನ ಸ್ಥೂಲದೇಹದಲ್ಲಿ
ಉಂಟಾದ ಮರಣದ ಮೂಲಕ ಈಗ ಸಂದಾನ ಪಡಿಸಿಕೊಂಡಿದ್ದಾನೆ. ಮತ್ತು ನಿಮ್ಮನ್ನು

ಪರಿಶುದ್ಧರನ್ನಾಗಿಯೂ ನಿರ್ದೋಷಿಗಳನ್ನಾಗಿಯೂ ನಿರಪರಾಧಿಗಳನ್ನಾಗಿಯೂ ತನ್ನ
ಸನ್ನಿಧಿಯಲ್ಲಿ ನಿಲ್ಲಿಸಬೇಕೆಂದಿದ್ದಾನೆ. ೨೩ ನೀವು ಕೇಳಿದಂತ ಆಕಾಶ ಕೆಳಗಿರುವ ಸರ್ವ ಸೃಷ್ಟಿಗೆ
ಸಾರಪಡದಂತ ಸುವಾರ್ತೆಯಿಂದ ಉಂಟಾದ ನಿರೀಕ್ಷೆಯನ್ನು ಬಿಟ್ಟು ತೊಲಗಿ ಹೋಗದೇ
ಅಸ್ತಿವಾರದ ಮೇಲೆ ನಿಂತು ಸ್ಥಿರವಾಗಿದ್ದು ನಂಬಿಕೆಯಲ್ಲಿ ನೆಲೆಗೊಂಡಿರುವದಾದರೆ ಆ
ಪದವಿ ನಿಮಗೆ ಪ್ರಾಪ್ತವಾಗುವದು. ೨೪ ಪೌಲನೆಂಬ ನಾನು ಈ ವಾರ್ತೆಗೆ ಸೇವಕವಾಗಿದ್ದೇನು.
ನಾನು ಈಗ ನಿಮಗೋಸ್ಕರ ಅನಿಭವಿಸುತ್ತಿರುವ ಬಾದೆಗಳಲ್ಲಿ ಸಂತೋಷಪಟ್ಟು ಕ್ರಿಸ್ತನ
ಸಂಕಟಗಳೊಳಗೆ ಇನ್ನೂ ಉಳಿದಿದ್ದನ್ನು ಸಭೆಯೆಂಬ ಆತನ ದೇಹಗೋಸ್ಕರ ನನ್ನ ಶರೀರದಲ್ಲಿ
ಅನುಭವಿಸಿ ತೀರಿಸುತ್ತೇನೆ. ೨೫ ನಾನು ಸಭೆಗೆ ಸೇವಕನಾಗಿದ್ದೇನು. ದೇವರು ತನ್ನ ವಾಕ್ಯವನ್ನು
ಸಂಪೂರ್ಣವಾಗಿ ತಿಳಿಸುವ ಕೆಲಸವನ್ನು ನಿಮ್ಮ ಪ್ರಯೋಜನಕ್ಕೋಸ್ಕರ ನನಗೆ ದಯಪಾಲಿಸಿದನು.
೨೬ ಆ ವಾಕ್ಯವು ಹಿಂದಿನ ಯುಗಯುಗಗಳಿಂದಲೂ ತಲತಲಾಂತರಗಳಿಂದಲೂ ಮರೆಯಾಗಿತ್ತು.
ಈಗಿನ ಕಾಲದಲ್ಲಿ ದೇವಜನರಿಗೆ ತಿಳಿಸಲ್ಪಟ್ಟಿದೆ. ೨೭ ಅನ್ಯ ಜನಗಳ ವಿಷಯವಾದ ಈ
ಮರ್ಮದ ಮಹಿಮಾತಿಶಯವು ಎಷ್ಟೇಮಭದನ್ನು ದೇವರು ತನ್ನ ಜನರಿಗೆ ತಿಳಿಸಲಿಕ್ಕೆ ಮನಸ್ಸು
ಮಾಡಿಕೊಂಡನು. ಈ ಮರ್ಮವು ಏನೆಂದರೆ ಕ್ರಿಸ್ತನು ನಿಮ್ಮಲ್ಲಿದ್ದು ಪ್ರಭಾವದ ನಿರೀಕ್ಷೆಗೆ
ಆಧಾರಭೂತನಾಗಿರುವದೇ. ೨೮ ನಾವು ಆತನನ್ನು ಪ್ರಸಿದ್ಧಿಪಡಿಸುವವರಾಗಿ ಸಕಲರಿಗೂ ಬುದ್ಧಿ
ಹೇಳುತ್ತಾ ಸರ್ವರಿಗೂ ಪೂರ್ಣಜ್ಞಾನವನ್ನು ಉಪಯೋಗಿಸುತ್ತಾ ದೇವರ ಮುಂದೆ ಎಲ್ಲರನ್ನೂ
ಕ್ರಿಸ್ತನಲ್ಲಿ ಪ್ರವೀಣರನ್ನಾಗಿ ನಿಲ್ಲಿಸುವದಕ್ಕೆ ಪ್ರಯತ್ನಿಸುತ್ತಿದ್ದೇವೆ. ೨೯ ನನ್ನಲ್ಲಿ ಕಾರ್ಯಸಾಧಿಸುವ
ದೇವರ ಬಲವನ್ನು ಪ್ರಯೋಗ ಮಾಡಿ ಇದಕ್ಕೋಸ್ಕರವೇ ಹೋರಾಡುತ್ತೇನೆ. ಪ್ರಯಾಸಪಡುತ್ತೇನೆ.

ಸುಳ್ಳು ಬೋಧಕರಿಗೆ ಕಿವಿಗೊಡಬಾರದೆಂದು ಎಚ್ಚರಿಕೆ.

೨ ೧ ನಿಮಗೋಸ್ಕರವೂ ಲವೊದಿಕೀಯದವರಿಗೋಸ್ಕರವೂ ನನ್ನನ್ನು ಕಣ್ಣಾರೆ
ಕಾಣದಿರುವವರೆಲ್ಲರಿಗೋಸ್ಕರವೂ ನನಗೆ ಬಹಳ ಹೋರಾಟವುಂಟೆಂಬುದು ನಿಮಗೆ
ತಿಳಿದಿರಬೇಕೆಂದು ಅಪೇಕ್ಷಿಸುತ್ತೇನೆ. ೨-೩ ಹೇಗೆಂದರೆ ನೀವೆಲ್ಲರು ಪ್ರೀತಿಯಿಂದ
ಹೊಂದಿಕೆಯಾಗಿದ್ದು ಬುದ್ಧಿಪೂರ್ವಕ ನಿಶ್ಚಯವೆಂಬ ಭಾಗ್ಯವನ್ನು ಪಡೆದು ದೇವರು
ತಿಳಿಸಿರುವ ಮರ್ಮವನ್ನು ಅಂದರೆ ತನ್ನಲ್ಲೇ ಜ್ಞಾನವಿಧ್ಯಾಸಂಬಂಧವಾದ ನಿಕ್ಷೇಪಗಳನ್ನೆಲ್ಲಾ
ಅಡಗಿಸಿಕೊಂಡಿರುವ ಕ್ರಿಸ್ತನನ್ನು ತಿಳುಕೊಂಡವರಾಗಿ ಹೃದಯದಲ್ಲಿ ದೃಡವಾಗಿರಬೇಕೆಂದು
ಕುತೂಗಲವು ನನಗುಂಟು. ೪ ಯಾರಾದರೂ ರಂಜನೆಯಾದ ಮಾತುಗಳಿಂದ ನಿಮ್ಮನ್ನು
ಮೋಸಗೊಳಿಸಿಯಾರೆಂಬ ಭಯ ನನಗಿರುವದರಿಂದ ಇದನ್ನಿಲು ಹೇಳಿದ್ದೇನೆ. ೫ ನಾನು
ಶರೀರದಿಂದ ನಿಮ್ಮ ಬಳಿಯಲ್ಲಿ ಇಲ್ಲದಿದ್ದರೂ ಆತ್ಮನಿಂದ ನಿಮ್ಮೊಂದಿಗಿದ್ದು ನೀವು
ಕ್ರಯವಾಗಿ ನಡೆಸುವದನ್ನೂ ಕ್ರಿಸ್ತನಂಬಿಕೆಯಲ್ಲಿ ದೃಡವಾಗಿ ನಿಂತಿರುವದನ್ನೂ ನೋಡಿ
ಸಂತೋಷಪಡಿಸುತ್ತೇನೆ. ೬ ಆದದರಿಂದ ನೀವು ಕರ್ತನಾದ ಯೇಸುವೆಂಬ ಕ್ರಿಸ್ತನನ್ನು
ಅಂಗೀಕರಿಸಿದಂತೆಯೇ ಆತನಲ್ಲಿದ್ದವರಾಗಿ ನಡೆದುಕೊಳ್ಳಿರಿ. ೭ ಆತನಲ್ಲಿ ಬೇರೂರಿಕೊಂಡು
ಭಕ್ತಿವೃದ್ಧಿಯನ್ನು ಹೊಂದಿ ನಿಮಗೆ ಬೋಧಿಸಲ್ಪಟ್ಟ ಉಪದೇಶದ ಪ್ರಕಾರವೇ ಕ್ರಿಸ್ತನಂಬಿಕೆಯಲ್ಲಿ
ನೆಲೆಗೊಂಡು ದೇವರಿಗೆ ಹೆಚ್ಚೆಚ್ಚಾಗಿ ಸ್ತೋತ್ರ ಮಾಡುವವರಾಗಿರಿ.
೮ ಕ್ರಿಸ್ತನನ್ನು ಅನುಸರಿಸದೇ ಮನುಷ್ಯರ ಸಂಪ್ರದಾಯಗಳನ್ನು ಪ್ರಾಪಂಚಿಕ ಬಾಲಬೋಧನೆಯನ್ನೂ
ಅನುಸರಿಸುವವರು ನಿಮ್ಮಲ್ಲಿ ಬಂದು ಮೋಸವಾದ ನಿರರ್ಥಕ ತತ್ವಜ್ಞಾಬೋಧನೆಯಿಂದ
ನಿಮ್ಮ ಮನಸ್ಸನ್ನು ಕೆಡಿಸಿ ನಿಮ್ಮನ್ನು ವಶಮಾಡಿಕೊಂಡಾರು.ಎಚ್ಚರಿಕೆಯಾಗಿರ್ರಿ.
೯ ಕ್ರಿಸ್ತನಲ್ಲಿಯೇ ದೇವರ ಸರ್ವಸಂಪೂರ್ಣತೆಯು ಅವತರಿಸಿ ವಾಸಮಾಡುತ್ತದೆ. ೧೦ ಮತ್ತು
ನೀವು ಆತ್ಮನಲ್ಲಿದ್ದುಕೊಂಡೇ ಪರಿಪೂರ್ಣತೆಯನ್ನು ಹೊಂದಿದವರಾಗಿದ್ದೀರಿ. ೧೧ ಆತನು ಎಲ್ಲಾ
ದೊರೆತನಗಳಿಗೂ ಅಧಿಕಾರಿಗಳಿಗೂ ಶಿರಸ್ಸು ನೀವು ಆತನಲ್ಲಿ ಸುನ್ನತಿಯನ್ನು ಹೊಂದಿದ್ದೀರಿ.
ಈ ಸುನ್ನತಿಯು ಕೈಯಿಂದ ಮಾಡಿದ್ದಲ್ಲ. ಇದು ಪಾಪಾದೀನಸ್ವಭಾವವನ್ನು ವಿಸರ್ಜಿಸುವದೇ.
ಇದೇ ಕ್ರಿಸ್ತೀಯ ಸುನ್ನತಿ. ೧೨ ನೀವು ದೀಕ್ಷಾಸ್ನಾನದಲ್ಲಿ ಕ್ರಿಸ್ತನೊಂದಿಗೆ ಹೂಣಲ್ಪಟ್ಟದ್ದರಿಂದಲೇ
ಆ ಸುನ್ನತಿಯನ್ನು ಹೊಂದಿದ್ದಿರಿ. ಇದಲ್ಲದೆ ಆತನನ್ನು ಸತ್ತವರೊಳಗಿಂದ ಎಬ್ಬಿಸಿದ ದೇವರು
ಸಾಮರ್ಥದಲ್ಲಿ ನಂಬಿಕೆಯಿಡುವದರ ಮೂಲಕ ಅದರಲ್ಲಿ ಆತನ ಕೂಡ ಎದ್ದು ಬಂದಿದ್ದೀರಿ.
೧೩ ಅಪರಾಧಗಳನ್ನು ಮಾಡುವದರಿಂದಲೂ ಸುನ್ನತಿಯಿಲ್ಲದ ಶರೀರಭಾವದಿಂದಲೂ ಸತ್ತವರಾಗಿದ್ದ
ನಿಮ್ಮನ್ನು ಸಹ ದೇವರು ಕ್ರಿಸ್ತನೊಂದಿಗೆ ಬದುಕಿಸಿದ್ದಾನೆ. ೧೪ ಆತನು ನಮ್ಮ ಅಪರಾಧಗಳನ್ನೆಲ್ಲಾ
ಕ್ಷಮಿಸಿ ನಮ್ಮ ಮೇಲೆ ದೋಪಾರೋಪಣೆಮಾಡಿದಂಥ ಆಜ್ಞಾರೂಪವಾಗಿದ್ದಂಥ ಪತ್ರವನ್ನು

ಕೆಡಿಸಿ ಅದನ್ನು ಶಿಲುಬೆಗೆ ಜಡಿದು ಇಲ್ಲದಂತಾಗಮಾಡಿದನು. ೧೫ ಆತನು ದೊರೆತನಗಳನ್ನೂ
ಅಧಿಕಾರಗಳನ್ನೂ ನಿರಾಯುಧರನ್ನಾಗಿ ಮಾಡಿ ಜಯೋತ್ಸವಮಾಡುತ್ತಾನೋ ಎಂಬಂತೆ ಶಿಲುಬೆಯ
ಮೇಲೆ ಅವುಗಳನ್ನು ಜಯಿಸಲ್ಪಟ್ಟವುಗಳನ್ನಾಗಿ ಮೆರೆಯುತ್ತಾ ತೋರಿಸಿದನು.
೧೬ ಹೀಗಿರುವದರಿಂದ ತಿಂದು ಕುಡಿಯುವ ವಿಷಯದಲ್ಲಿಯೂ ಹಬ್ಬ ಅಮವಾಸ್ಯೆ ಸಬ್ಬತ್ತು
ಎಂಬಿವುಗಳ ವಿಷಯದಲ್ಲಿಯೂ ನಿಮ್ಮನ್ನು ದೋಷಿಗಳೆಂದು ಯಾರೂ ಎಣಿಸಬಾರದು. ೧೭ ಇವು
ಮುಂದೆ ಬರಬೇಕಾಗಿದ್ದ ಕಾರ್ಯಗಳು ಛಾಯೆಯಾಗಿವೆ. ಇವುಗಳ ನಿಜಸ್ವರೂಪವು ಕ್ರಿಸ್ತನೇ.
೧೮-೧೯ ಕೆಲವರು ಅತೀ ವಿನಯದಲ್ಲಿಯೂ ದೇವದೂತರ ಪೂಜೆಯಲ್ಲಿಯೂ ಆಸಕ್ತರಾಗಿದ್ದಾರೆ.
ತಮಗೆ ದರ್ಶನಗಳಾದವೆಂದು ಕೊಚ್ಚಿಕೊಳ್ಳುತ್ತಾರೆ. ಮತ್ತು ಪ್ರಾಪಂಚಿಕ ಬುದ್ದಿಯಿಂದ
ನಿರಾಧಾರವಾಗಿ ಉಬ್ಬಿಕೊಂಡಿದ್ದಾರೆ. ಆದರೆ ಕ್ರಿಸ್ತನೆಂಬ ಶಿರಸ್ಸಿನ ಹೊಂದಿಕೆಯನ್ನು
ಬಿಟ್ಟವರಾಗಿದ್ದಾರೆ ಇಂಥವರು ನಿಮಗೆ ದೊರೆಯುವ ಬರುದನ್ನು ಅಪಹರಿಸುವದಕ್ಕೆ
ಅವಕಾಶಕೊಡಬೇಡಿರಿ. ಆ ಶಿರಸ್ಸಿನಿಂದಲೇ ದೇಹವೆಲ್ಲಾ ಕೀಲುನರಗಳ ಮೂಲಕ ಬೇಕಾದ
ಸಹಾಯವನ್ನು ಹೊಂದಿ ಒಂದಾಗಿ ಕೂಡಿಸಲ್ಪಟ್ಟು ದೇವರು ಕೊಡುವ ವೃದ್ಧಿಯಿಂದ
ಅಭಿವೃದ್ಧಿಯಾಗುತ್ತಾ ಬರುತ್ತದೆ.
೨೦ ಪ್ರಾಪಂಚಿಕ ಬಾಲಬೋಧನೆಯ ಪಾಲಿಗೆ ನೀವು ಕ್ರಿಸ್ತನೊಂದಿಗೆ ಸತ್ತವರಾದ್ದ ಮೇಲೆ
ಇನ್ನೂ ಪ್ರಾಪಂಚಿಕರಾಗಿ ಬದುಕುವವರಂತೆ ಮನುಷ್ಯಕಲ್ಪಿತ ಆಜ್ಞೆಗಳನ್ನು ಉಪದೇಶಗಳನ್ನು
ಅನುಸರಿಸಿ, ೨೧-೨೨ ಇದನ್ನು ಹಿಡಿಯಬೇಕು. ಇದನ್ನು ರುಚಿನೋಡಬೇಡ. ಅದನ್ನು
ಮುಟ್ಟಬೇಡ ಎನ್ನುವ ನಿಭಂದನೆಗಳಿಗೆ ನಿಮ್ಮನ್ನು ಒಳಗಾಗಮಾಡಿಕೊಳ್ಳುವದೇಕೆ?
ಆ ಪದಾರ್ಥಗಳೆಲ್ಲವೂ ಬಳಸುವದರಲ್ಲಿ ನಾಶವಾಗುತ್ತದೆ. ೨೩ ಅಂಥ ಉಪದೇಶಗಳು
ಸ್ವಕಲ್ಪಿತಾಚಾರವನ್ನು ಅತಿವಿನಯವನ್ನೂ ದೇಹದಂಡನೆಯನ್ನೂ ಭೋದಿಸುತ್ತಾ ಹೆಸರಿಗೆ
ಮಾತ್ರ ಜ್ಞಾನವೆನಿಸಿಕೊಳ್ಳುತ್ತವೆಯಲ್ಲದೆ ಶಾರೀರಿಕ ಇಚ್ಛೆಗಳನ್ನು ನಿಗ್ರಹಿಸುವದರಲ್ಲಿ ಯಾವ
ಪ್ರಯೋಜನಕ್ಕೂ ಬರುವದಿಲ್ಲ.

## ಅಜ್ಞಾನಿಗಳ ದುರ್ನಡತೆಯನ್ನು ಬಿಟ್ಟು ಬಿಟ್ಟು ಯೋಗ್ಯರಾಗಿ ನಡೆಯಬೇಕೆಂದು ಬೋದೆ
(ಅಫೆ ೪. ೧೭-೬,೯)

೩ ೧ ಆದಕಾರಣ ನೀವು ಕ್ರಿಸ್ತನೊಂದಿಗೆ ಎಬ್ಬಿಸಲ್ಪಟ್ಟಿರುವದರಿಂದ ಮೇಲಿರುವವುಗಳನ್ನೇ
ಹುಡುಕಿರಿ. ಅಲ್ಲಿ ಕ್ರಿಸ್ತನು ದೇವರ ಬಲಗಡೆಯಲ್ಲಿ ಆಸನಾರೂಡನಾಗಿದ್ದಾನೆ.
೨ ಮೇಲಿರುವಂಥವುಗಳ ಮೇಲೆ ಮನಸ್ಸಿಡಿರಿ. ಭೂಸಂಭಂದವುಗಳ ಮೇಲೆ ಇಡಬೇಡಿರಿ.
೩ ಯಾಕಂದರೆ ನೀವು ಸತ್ತಿರಲ್ಲಾ. ನಿಮ್ಮ ಜೀವವು ಕ್ರಿಸ್ತನೊಂದಿಗೆ ದೇವರಲ್ಲಿ ಮರೆಯಾಗಿಟ್ಟದೆ.
೪ ನಮಗೆ ಜೀವವಾಗಿರುವ ಕ್ರಿಸ್ತನು ಪ್ರತ್ಯಕ್ಷನಾಗುವಾಗ ನೀವು ಸಹ ಆತನ ಜೊತೆಯಲ್ಲಿ
ಪ್ರಭಾವದಿಂದ ಕೂಡಿದವರಾಗಿ ಪ್ರತ್ಯಕ್ಷರಾಗುವಿರಿ
೫ ಆದುದರಿಂದ ನಿಮ್ಮಲ್ಲಿರುವ ಭೂಸಂಬಂಧವಾದ ಭಾವಗಳನ್ನು ಸಾಯಿಸಿರಿ. ಜಾರತ್ವ
ಭಂಡುತನ ಕಾಮಾಭಿಲಾಷೆ ದುರಾಶೆ ವಿಗ್ರಹಾರಾಧನೆಗೆ ಸಮವಾಗಿರುವ ಲೋಭ ಇವುಗಳನ್ನು
ವಿಸರ್ಜಿಸಿಬಿಡಿರಿ. ೬ ಇವುಗಳ ನಿಮಿತ್ತ ದೇವರ ಕೋಪವು ಉಂಟಾಗುತ್ತದೆ. ೭ ಪೂರ್ವದಲ್ಲಿ
ನೀವು ಸಹ ಈ ದುರ್ಭಾವಗಳ ಅಧೀನದಲ್ಲಿದ್ದು ಈ ಕೆಲಸವನ್ನು ನಡಿಸುತ್ತಿದ್ದಿರಿ. ೮ ಈಗಲಾದರೋ
ಕ್ರೋಧ ಕೋಪ ಮತ್ಸರ ದೂಷಣೆ ಬಾಯಿಂದ ಹೊರಡುವ ದುರ್ವಾಸನೆ ಇವುಗಳನ್ನು
ವಿಸರ್ಜಿಸಿಬಿಡಿರಿ. ೯ ಒಬ್ಬರಿಗೊಬ್ಬರು ಸುಳ್ಳಾಡಬೇಡಿರಿ. ನೀವು ಪೂರ್ವಸ್ವಭಾವವನ್ನು
ಅದರ ಕೃತ್ಯಗಳ ಜಕೂಡ ತೆಗೆದಿಟ್ಟು ನೂತನ ಸ್ವಭಾವವನ್ನು ಧರಿಸಿಕೊಂಡಿದ್ದಿರಲ್ಲವೇ. ೧೦ ಈ
ಸ್ವಭಾವವು ಅದನ್ನು ಸೃಷ್ಟಿಸಿದಾತನ ಹೋಲಿಕೆಯ ಮೇರೆಗೆ ದಿನೇ ದಿನೇ ನೂತನವಾಗುತ್ತಾ
ಪೂರ್ಣ ಜ್ಞಾನವನ್ನು ಉಂಟುಮಾಡುತ್ತದೆ. ೧೧ ಇದನ್ನು ಧರಿಸಿಕೊಂಡಿರುವದರಲ್ಲಿ ಗ್ರೀಕನು
ಯೆಹೂದ್ಯನು ಎಂಬ ಬೇದವಿಲ್ಲ. ಸುನ್ನತಿಮಾಡಿಸಿಕೊಂಡವರು ಸುನ್ನತಿ ಮಾಡಿಸಿಕೊಳ್ಳದವರು
ಎಂಬ ಬೇಧವಿಲ್ಲ. ಮ್ಲೇಚ್ಛ ಹೂಣ ಎಂಬ ಹೆಸರುಗಳಿಲ್ಲ. ಆಳು ಒಡೆಯ ಎಂಬ ಭೇದವಿಲ್ಲ.
ಆದರೆ ಕ್ರಿಸ್ತನೇ ಸಮಸ್ತರಲ್ಲಿಯೂ ಸಮಸ್ತವೂ ಆಗಿರುವನು. ೧೨ ಹೀಗಿರಲಾಗಿ ದೇವರಿಂದ
ಆರಿಸಿಕೊಂಡವರೂ ಪ್ರತಿಷ್ಠಿತರೂ ಪ್ರಿಯರೂ ಆಗಿರುವದರಿಂದ ಕನಿಕರ ದಯೆ ದೀನಭಾವ
ಸಾತ್ವಿಕತ್ವ ದೀರ್ಘಶಾಂತಿ ಎಂಬ ಸದ್ಗುಣಗಳನ್ನು ಧರಿಸಿಕೊಳ್ಳಿರಿ ೧೩ ಮತ್ತೊಬ್ಬನ ಮೇಲೆ
ತಪ್ಪುಹೊರಿಸುವದಕ್ಕೆ ಕಾರಣವಿದ್ದರೂ ತಪ್ಪುಹೊರಿಸದೆ ಒಬ್ಬರಿಗೊಬ್ಬರು ಸೈರಿಸಿಕೊಂಡು
ಕ್ಷಮಿಸಿರಿ. ಕರ್ತನು ನಿಮ್ಮನ್ನು ಕ್ಷಮಿಸಿದಂತೆಯೇ ನೀವೂ ಕ್ಷಮಿಸಿರಿ. ೧೪ ಇದೆಲ್ಲಾದರ ಮೇಲೆ

ಪ್ರೀತಿಯನ್ನು ಧರಿಸಿಕೊಳ್ಳಿರಿ. ಅದು ಸಮಸ್ತವನ್ನು ಸಂಪೂರ್ಣಮಾಡುವ ಬಂಧನವಾಗಿದೆ.
೧೫ ಕ್ರಿಸ್ತನಿಂದಾದ ಸಮಾದಾನವು ನಿಮ್ಮ ಹೃದಯದಲ್ಲಿಯೂ ಯಜಮಾನಂತಿದ್ದು ತೀರ್ಪುಹೇಳಲಿ.
ನೀವು ಹಿಂದೆ ದೇಹಕ್ಕೆ ಸೇರಿದವರಾದದರಿಂದ ಸಮಾಧಾನದಿಂದಿರುವದಕ್ಕಾಗಿ ಕರೆಯಲ್ಪಟ್ಟಿರಿ.
ಇದಲ್ಲದೆ ಕೃತಜ್ಞತೆಯುಳ್ಳವರಾಗಿರ್ರಿ ೧೬ ಕ್ರಿಸ್ತನ ವಾಕ್ಯವು ನಿಮ್ಮಲ್ಲಿ ಸಮೃದ್ಧಿಯಾಗಿ
ವಾಸಿಸಲಿ. ಸಕಲಜ್ಞಾನದಿಂದ ಕೂಡಿದವರಾಗಿ ಒಬ್ಬರಿಗೊಬ್ಬರು ಉಪದೇಶಮಾಡಿಕೊಳ್ಳಿರಿ.
ಬುದ್ದಿಹೇಳಿಕೊಳ್ಳಿರಿ. ಕರ್ತನ ಕೃಪೆಯನ್ನು ನೆನಸಿಕೊಳ್ಳುವವರಾಗಿ ಕೀರ್ತನೆಗಳಿಂದಲೂ
ಸಂಗೀತಗಳಿಂದಲೂ ಆತಮಸಂಭಂದವಾದ ಹಾಡುಗಳಿಂದಲೂ ನಿಮ್ಮ ಹೃದಯಗಳಲ್ಲಿ ದೇವರಿಗೆ
ಗಾನ ಮಾಡಿರಿ. ೧೭ ನೀವು ನುಡಿಯಿಂದಾಗಲಿ ನಡೆಯಿಂದಾಗಲಿ ಏನು ಮಾಡಿದರೂ
ಅದೆಲ್ಲವನ್ನೂ ಕರ್ತನಾದ ಯೇಸುವಿನ ಹೆಸರಿನಲ್ಲಿಯೇ ಮಾಡಿರಿ. ಆತನ ಮೂಲಕ ತಂದೆಯಾದ
ದೇವರಿಗೆ ಕೃತಜ್ಞತಾಸ್ತುತುಯನ್ನು ಸಲ್ಲಿಸಿರಿ.
೧೮ ಸ್ತ್ರೀಯರೇ ನಿಮ್ಮ ಗಂಡಂದಿರಿಗೆ ಅಧೀನರಾಗಿರಿ. ಇದು ಕರ್ತನಲ್ಲಿರುವವರಿಗೆ
ಯೋಗ್ಯವಾಗಿದೆ. ೧೯ ಪುರುಷರೇ, ನಿಮ್ಮ ಹೆಂಡತಿಯರನ್ನು ಪ್ರೀತಿಸಿರಿ. ಅವರಿಗೆ
ನಿಷ್ಠುರವಾಗಬೇಡಿರಿ. ೨೦ ಮಕ್ಕಳೇ ಎಲ್ಲಾ ವಿಷಯಗಳಲ್ಲಿ ನಿಮ್ಮ ತಂದೆತಾಯಿಗಳ ಮಾತನ್ನು
ಕೇಳಿರಿ. ಇದು ಕರ್ತನ ದೃಷ್ಟಿಯಲ್ಲಿ ಮೆಚ್ಚಿಕೆಯಾಗಿದೆ. ೨೧ ತಂದೆಗಳೇ, ನಿಮ್ಮ ಮಕ್ಕಳನ್ನು
ಕೆಣಕಿ ಅವರಿಗೆ ಮನಗುಂದಿಸಬೇಡಿರಿ. ೨೨ ದಾಸತ್ವದಲ್ಲಿರುವವರೇ, ಈ ಲೋಕದಲ್ಲಿನ ನಿಮ್ಮ
ಯಜಮಾನರಿಗೆ ಎಲ್ಲಾ ವಿಷಯಗಳಲ್ಲಿ ವಿಧೇಯರಾಗಿರಿ. ಮನುಷ್ಯರನ್ನು ಮೆಚ್ಚಿಸುವವರು
ಮಾಡುವ ಪ್ರಕಾರ ನಿಮ್ಮ ಯಜಮಾನರು ನೋಡುತ್ತಿರುವಾಗ ಮಾತ್ರ ಸೇವೆಮಾಡದೆ ಕರ್ತನಿಗೆ
ಭಯಪಡುವವರಾಗಿರಿ. ೨೩ ಸರಳಮನಸ್ಸಿನಿಂದ ಕೆಲಸ ಮಾಡಿರಿ. ನೀವು ಯಾವ ಕೆಲಸವನ್ನು
ಮಾಡಿದ್ದಿರೋ ಅದನ್ನು ಮನುಷ್ಯರಿಗೋಸ್ಕರವೆಂದು ಮಾಡದೇ ಕರ್ತನಿಗೋಸ್ಕರವೇ ಎಂದು
ಮನಪೂರ್ವಕವಾಗಿ ಮಾಡಿರಿ. ೨೪ ಕರ್ತನಿಂದ ಪರಲೋಕ ಭಾದ್ಯತೆಯೆಂಬ ಪ್ರತಿಫಲವನ್ನು
ಹೊಂದುವಿರೆಂದು ತಿಳಿದಿದ್ದೀರಲ್ಲಾ. ನೀವು ಕರ್ತನಾದ ಕ್ರಿಸ್ತನಿಗೆ ದಾಸರಾಗಿದ್ದೀರಿ.
೨೫ ಅನ್ಯಯಮಾಡುವವನು ತಾನು ಮಾಡಿದ ಅನ್ಯಾಯಕ್ಕೆ ತಕ್ಕ ಪ್ರತಿಫಲವನ್ನು ಹೊಂದುವನಷ್ಟೆ.
ಪಕ್ಷಪಾತವಿರುವದಿಲ್ಲ.

೪ ೧ ಯಜಮಾನರೇ, ಪರಲೋಕದಲ್ಲಿ ನಿಮಗೂ ಯಜಮಾನನೊಬ್ಬನಿದ್ದಾನೆಂದು ತಿಳಿದು
ನಿಮ್ಮ ದಾಸರಿಗೆ ನ್ಯಾಯವಾದದ್ದನ್ನೂ ಸರಿಯಾದದ್ದನ್ನೂ ಮಾಡಿರಿ.
೨ ಪ್ರಾರ್ಥನೆಯನ್ನು ತಪ್ಪದೆ ಮಾಡುವವರಾಗಿ ಅದರಲ್ಲಿ ಎಚ್ಚರವಾಗಿದ್ದು ದೇವರಿಗೆ
ಕೃತಜ್ಞತಾಸ್ತುತಿಮಾಡಿರಿ. ೩-೪ ಇದಲ್ಲದೆ ನಮಗೋಸ್ಕರವೂ ಪ್ರಾರ್ಥನೆಮಾಡಿರಿ. ಕ್ರಿಸ್ತನ
ವಿಷಯದಲ್ಲಿ ದೇವರು ತೀಳಿಯಪಡಿಸಿದ ಸತ್ಯಾರ್ಥವನ್ನು ಪ್ರಸಂಗಿಸುವದಕ್ಕೆ ಆತನು
ಅನುಕೂಲವಾದ ಸಂಧರ್ಭವನ್ನು ನಮಗೆ ದಯಪಾಲಿಸಿ ನಾನು ಅದನ್ನು ಹೇಳಬೇಕಾದ ರೀತಿಯಲ್ಲಿ
ತಿಳಿಸುವಂತೆ ಅನುಗ್ರಹಮಾಡಬೇಕೆಂದು ಬೇಡಿಕೊಳ್ಳಿರಿ. ಈ ಸತ್ಯಾರ್ಥದ ನಿಮಿತ್ತವೇ ನಾನು
ಸೆರೆಯಲ್ಲಿದ್ದೇನಲ್ಲಾ. ೫ ನಮಯವನ್ನು ಸುಮ್ಮನೆ ಕಳಕೊಳ್ಳದೆ ಅದನ್ನು ಬೆಲೆಯುಳ್ಳದೆಂದು
ಉಪಯೋಗಿಸಿ. ಹೊರಗಿನವರ ಮುಂದೆ ಜ್ಞಾನವುಳ್ಳವರಾಗಿ ನಡೆದುಕೊಳ್ಳಿರಿ. ೬ ನಿಮ್ಮ
ಸಂಭಾಷಣೆಗೆ ಯಾವಾಗಲೂ ಇಂಪಾಗಿಯೂ ರಸವತ್ತಾಗಿಯೂ ಇರಲಿ. ಹೀಗೆ ನೀವು ಯಾರಾರಿಗೆ
ಯಾವಾವ ರೀತಿಯಲ್ಲಿ ಉತ್ತರಹೇಳಬೇಕೋ ಅದನ್ನು ತಿಳುಕೊಳ್ಳುವಿರಿ.

## ವಂದನೆಗಳು ಕಡೇ ಮಾತುಗಳು

೭ ಪ್ರಿಯ ಸಹೋದರನೂ ನಂಬಿಗಸ್ತನಾದ ಸೇವಕನೂ ಕರ್ತನಲ್ಲಿ ಜೊತೆಯ ದಾಸನೂ ಆಗಿರುವ
ತುಖಿಕನು ನನ್ನ ಸಂಗತಿಗಳನ್ನೆಲ್ಲಾ ನಿಮಗೆ ತಿಳಿಸುವನು. ೮ ನೀವು ನನ್ನ ಸಮಾಚಾರವನ್ನು
ತಿಳಿದುಕೊಳ್ಳುವ ಹಾಗೆಯೂ ಅವನು ನಿಮ್ಮ ಹೃದಯಗಳನ್ನು ಸಂತೈಸುವ ಹಾಗೆಯೂ ಅವನನ್ನು
ನಂಬಿಗಸ್ತನಾದ, ೯ ಪ್ರಿಯ ಸಹೋದರನಾಗಿರುವ ನಿಮ್ಮ ಊರಿನ ಒನೇಸಿಮನ ಜೊತೆಯಲ್ಲಿ
ಕಳುಹಿಸಿದ್ದೇನೆ. ಅವರು ಇಲ್ಲಿ ನಡೆಯುವ ಸಂಗತಿಗಳನ್ನೆಲ್ಲಾ ನಿಮಗೆ ತಿಳಿಸುವರು.
೧೦ ನನ್ನ ಜೊತೆ ಸೆರೆಯವನಾದ ಅರಿಸ್ತಾರ್ಕನೂ ಬಾರ್ನಬನಿಗೆ ದಾಯಾದನಾಗಿರುವ ಮಾರ್ಕನೂ
ನಿಮಗೆ ವಂದನೆ ಹೇಳುತ್ತಾರೆ. ಮಾರ್ಕನನ್ನು ಕುರಿತು ಅಪ್ಪಣೆಗಳನ್ನು ಹೊಂದಿದ್ದೀರಲ್ಲಾ
ಅವನು ನಿಮ್ಮ ಬಳಿಗೆ ಬಂದರೆ ಅವನನ್ನು ಸೇರಿಸಿಕೊಳ್ಳಿರಿ. ೧೧ ಯುಸ್ತನೆನಿಸಿಕೊಳ್ಳುವ
ಯೇಸು ಸಹ ನಿಮಗೆ ವಂದನೆ ಹೇಳುತ್ತಾನೆ. ಸುನ್ನತಿಯವರೊಳಗೆ ಇವರು ಮಾತ್ರವೇ
ದೇವರ ರಾಜ್ಯಾಭಿವೃದ್ದಿಗಾಗಿ ನನ್ನ ಜೊತೆಗೆಲಸದವರಾಗಿದ್ದಾರೆ. ಇವರಿಂದ ನನಗೆ

ಉಪಶಮನ ಉಂಟಾಯಿತು. ೧೨ ಕ್ರಿಸ್ತಯೇಸುವಿನ ದಾಸನಾಗಿರುವ ನಿಮ್ಮ ಊರಿನ
ಎಪಫ್ರನು ನಿಮಗೆ ವಂದನೆ ಹೇಳುತ್ತಾನೆ. ಪ್ರಾರ್ಥನೆ ಮಾಡುವಾಗಲೆಲ್ಲಾ ನಿಮಗೋಸ್ಕರ
ಹೋರಾಡಿ ನೀವು ಪ್ರವೀಣರಾಗಿಯೂ ಎಲ್ಲಾ ವಿಷಯಗಳಲ್ಲಿ ದೇವರ ಚಿತ್ತವನ್ನು ಕುರಿತು
ಪೂರ್ಣ ನಿಶ್ಚಯವುಳ್ಳವರಾಗಿಯೂ ನಿಂತಿರಬೇಕೆಂದು ವಿಜ್ಞಾಪನೆಮಾಡುತ್ತಾನೆ. ೧೩ ಇವನು
ನಿಮಗೋಸ್ಕರವೂ ಲವೊದಿಕೀಯದವರಿಗೋಸ್ಕರವೂ ಹಿರಿಯಾಪೋಲಿಯವರಿಗೋಸ್ಕರವೂ
ಬಹಳ ಪ್ರಯಾಸ ಪಡುತ್ತಾನೆಂದು ಸಾಕ್ಷಿಹೇಳುತ್ತೇನೆ. ೧೪ ಪ್ರಿಯ ವೈದ್ಯನಾಗಿರುವ ಲೂಕನು ಮತ್ತು
ದೇಮನು ನಿಮಗೆ ವಂದನೆ ಹೇಳುತ್ತಾರೆ. ೧೫ ಲವೊದಿಕೀಯದಲ್ಲಿರುವ ಸಹೋದರರಿಗೂ
ನುಂಫಳಿಗೂ ಆಕೆಯ ಮನೆಯಲ್ಲಿ ಕೂಡುವ ಸಭೆಯವರಿಗೂ ವಂದನೆ ಹೇಳಿರಿ.

೧೬ ನಿಮ್ಮಲ್ಲಿ ಈ ಪತ್ರಿಕೆಯನ್ನು ಓದಿಕೊಂಡ ತರುವಾಯ ಲವೊದಿಕೀಯದವರ
ಸಭೆಯಲ್ಲಿಯೂ ಓದಿಸಿರಿ. ಮತ್ತು ನಾಣು ಬರೆದ ಪತ್ರಿಕೆಯನ್ನು ಲವೊದಿಕೀಯದಿಂದ ತರಿಸಿ
ನೀವೂ ಓದಿಸಿಕೊಳ್ಳಿರಿ. ೧೭ ಅರ್ಖಿಪ್ಪನಿಗೆ ನೀನು ಕರ್ತನಿಂದ ಹೊಂದಿರುವ ಸೇವೆಯನ್ನು
ನೆರವೇರಿಸುವದಕ್ಕೆ ಎಚ್ಚರವಾಗಿರಬೇಕೆಂದು ಹೇಳಿರಿ. ೧೮ ಇದು ಪೌಲನೆಂಬ ನಾನು ಸ್ವಂತ
ಕೈಯಿಂದ ಬರೆದ ವಂದನೆ. ನಾನು ಸೆರೆಯಲ್ಲಿದ್ದೇನೆಂಬದನ್ನು ಜ್ಞಾಪಕಮಾಡಿಕೊಳ್ಳಿರಿ. ಕೃಪೆಯು
ನಿಮ್ಮೊಂದಿಗಿರಲಿ.

# ಪೌಲನು ಥೆಸಲೋನಿಕದವರಿಗೆ ಬರೆದ ಮೊದಲನೆಯ ಪತ್ರಿಕೆ.

ಒಕ್ಕಣಿ ೧ ತಂದೆಯಾದ ದೇವರಲ್ಲಿಯೂ ಕರ್ತನಾದ ಯೇಸು ಕ್ರಿಸ್ತನಲ್ಲಿಯೂ ಇರುವ
ಥೆಸಲೋವಿಕದವರ ಸಭೆಗೆ ಪೌಲ ಸಿಲ್ವಾನ ತಿಮೊಥೆಯ ಎಂಬ ನಾವು ಬರೆಯುವದೇನಂದರೆ, -
ನಿಮಗೆ ಕೃಪೆಯು ಶಾಂತಿಯೂ ಆಗಲಿ. ಪೌಲನು ಥೆಸಲೋನಿಕದಲ್ಲಿ ಕಾಣಬಂದ
ಸದ್ಗುಣಗಳಿಗಾಗಿ ದೇವರಿಗೆ ಮಾಡಿದ ಕೃತಜ್ಞತಾಸ್ತುತಿ. ೨-೩ ನಾವು ನಂಬಿಕೆಯ ಫಲವಾದ ನಿಮ್ಮ
ಕೆಲಸವನ್ನು ಪ್ರೀತಿಪೂರ್ವಕವಾದ ನಿಮ್ಮ ಪ್ರಯಾಸವನ್ನು ನಮ್ಮ ಕರ್ತನಾದ ಯೇಸು ಕ್ರಿಸ್ತನ
ಮೇಲಣ ನಿರೀಕ್ಷೆಯಿಂದುಂಟಾದ ನಿಮ್ಮ ಸ್ಥೈರಣೆಯನ್ನು ನಮ್ಮ ತಂದೆಯಾದ ದೇವರ ಮುಂದೆ
ಎಡೆಬಿಡದೆ ಜ್ಞಾಪಕ ಮಾಡಿಕೊಂಡು. ನಮ್ಮ ಪ್ರಾರ್ಥನೆಗಳಲ್ಲಿ ನಿಮಗೋಸ್ಕರ ವಿಜ್ಞಾಪನೆ
ಮಾಡುವಾಗ ನಿಮ್ಮೆಲ್ಲರ ವಿಷಯದಲ್ಲಿ ದೇವರಿಗೆ ಯಾವಾಗಲೂ ಕೃತಜ್ಞತಾಸ್ತುತಿ ಸಲ್ಲಿಸುತ್ತೇವೆ.
೪ ದೇವರು ಪ್ರೀತಿಸಿದ ಸಹೋದರರೇ, ಆತನು ನಿಮ್ಮನ್ನು ಆದುಕೊಂಡನೆಂಬದನ್ನೂ , ೫ ನಾವು
ಸಾರಿದ ಸುವಾರ್ತೆಯು ನಿಮ್ಮಲ್ಲಿ ಬರೀ ಮಾತಾಗಿ ಬಾರದೆ ಶಕ್ತಿಯೋಡನೆಯೂ ಬಹು
ನಿಶ್ಚಯದೊಡನೆಯೂ ಬಂತೆಂಬದನ್ನು ಬಲ್ಲೆವು. ನಾವು ನಿಮ್ಮಲ್ಲಿದ್ದು ನಿಮಗೋಸ್ಕರ
ಎಂಥವರಾಗಿ ವರ್ತಿಸಿದೆವೆಂಬದನ್ನು ನೀವೂ ಬಲ್ಲಿರಿ. ೬ ನೀವು ಬಹಳ ಹಿಂಸೆಯನ್ನು
ಅವುಭವಿಸಬೇಕಾಗಿದ್ದರೂ ಪವಿತ್ರಾತ್ಮನಿಂದುಂಟಾದ ಆನಂದದೊಡನೆ ದೇವರ ವಾಕ್ಯವನ್ನು
ಅಂಗೀಕರಿಸಿ ನಮ್ಮನ್ನು ಕರ್ತನಾದ ಯೇಸುವನ್ನೂ ಅನುಸರಿಸುವವರಾದಿರಿ.
೭ ಹೀಗೆ ಮಕೆದೋನ್ಯದಲ್ಲಿಯೂ ಅಖಾಯದಲ್ಲಿಯೂ ಕ್ರಿಸ್ತನನ್ನು ನಂಬುವವರೆಲ್ಲರಿಗೆ
ಮಾದರಿಯಾದಿರಿ. ೮ ಕರ್ತನ ವಾಕ್ಯವು ನಿಮ್ಮಿಂದಲೇ ಮಕೆದೋನ್ಯದಲ್ಲಿಯೂ
ಅಖಾಯದಲ್ಲಿಯೂ ಘೋಷಿತವಾದದಲ್ಲದೆ ದೇವರ ಮೇಲೆ ನೀವು ಇಟ್ಟಿರುವ ನಂಬಿಕೆಯು
ಎಲ್ಲಾ ಸ್ಥಳಗಳಲ್ಲಿಯೂ ಪ್ರಸಿದ್ಧವಾಯಿತು.ಆದುದರಿಂದ ಆ ವಿಷಯದಲ್ಲಿ ನಾವು ಏನೂ
ಹೇಳಬೇಕಾದದ್ದಿಲ್ಲ ೯ ನಾವು ನಿಮ್ಮಲ್ಲಿಗೆ ಬಂದಾಗ ನೀವು ಎಂಥಾ ಮನಸ್ಸಿನಿಂದ ನಮ್ಮ
ಬೋಧನೆಯನ್ನು ಕೇಳಿದಿರೋ ಅದನ್ನು ಕುರಿತು ಅಲ್ಲಿಯ ಜನರು ತಾವೇ ಹೇಳುತ್ತಾರೆ. ಅದು
ಮಾತ್ತವಲ್ಲದೆ ನೀವು ವಿಗ್ರಹಗಳನ್ನು ಬಿಟ್ಟು ಬಿಟ್ಟು ದೇವರ ಕಡೆಗೆ ತಿರುಗಿಕೊಂಡು ಜೀವವುಳ್ಳ
ಸತ್ಯ ದೇವರನ್ನು ಸೇವಿಸುವವರಾದಿರೆಂತಲೂ ೧೦ ಆತನು ಸತ್ತವರೊಳಗಿಂದ ಎಬ್ಬಿಸಿದಂತ
ಆಕಾಶದೊಳಗಿಂದ ಬರುವಂಥ ಆತನ ಕುಮಾರನನ್ನು ಎದುರುನೋಡುವವರಾದಿರೆಂತಲೂ
ತಿಳಿಸುತ್ತಾರೆ. ಈ ಯೇಸುವು ಮುಂದೆ ಬರುವ ದೈವಕೋಪದಿಂದ ನಮ್ಮನ್ನು ತಪ್ಪಿಸುವಾತನು.

## ಪೌಲನು ಥೆಸಲೋನಿಕದಲ್ಲಿ ನಡಕೊಂಡ ರೀತಿಯ ವಿವರಣೆ.

೨ ೧ ಸಹೋದರರೇ ನಾವು ಸುಮ್ಮ ಸುಮ್ಮಗೆ ನಿಮ್ಮಲ್ಲಿಗೆ ಬರಲಿಲ್ಲವೆಂಬದನ್ನೂ ನಿಮಗೆ
ತಿಳಿದಿರುವ ಪ್ರಕಾರ, ೨ ನಮಗೆ ಫಿಲಿಪ್ಪಿ ಪಟ್ಟಣದಲ್ಲಿ ಹಿಂಸೆಯೂ ಅವಮಾನವೂ ಮೊದಲು
ಸಂಭವಿಸಿದರೂ ನಾವು ನಮ್ಮ ದೇವರ ಮೂಲಕ ಧೈರ್ಯಗೊಂಡು ಬಹು ವಿರೋಧವನ್ನು
ಅನುಭವಿಸುವವರಾಗಿ ನಿಮಗೆ ದೇವರ ಸುವಾರ್ತೆಯನ್ನು ತಿಳಿಸಿದೆವೆಂಬದನ್ನುನೀವೇ
ಬಲ್ಲಿರಿ. ೩ ಯಾಕಂದರೆ ನಮ್ಮ ಬೋಧನೆಯು ಅಬದ್ಧವಲ್ಲ. ಅಶುದ್ಧವಲ್ಲ. ಮೋಸವಲ್ಲ. ದೇವರು
ನಮ್ಮನ್ನು ಯೋಗ್ಯರೆಂದೆಣಿಸಿ, ೪ ಸುವಾರ್ತೆಯನ್ನು ನಮ್ಮ ವಶಕ್ಕೆ ಒಪ್ಪಿಸಿದನಲ್ಲಾ ಎಂದು
ಯೋಚಿಸುವವರಾಗಿ ಮನುಷ್ಯರನ್ನು ಮೆಚ್ಚಿಸಬೆಕೆನ್ನದೆ ಹೃದಯವನ್ನು ಪರಿಶೋಧಿಸುವ
ದೇವರನ್ನೇ ಮೆಚ್ಚಿಸಬೇಕೆಂದು ಮಾತಾಡುತ್ತೇವೆ. ೫ ನಿಮಗೆ ತಿಳಿದಿರುವ ಪ್ರಕಾರ ನಾವು
ಎಂದಿಗೂ ಮುಖಸ್ತುತಿಯನ್ನು ಮಾಡುವವರಾಗಿ ಕಾಣಬಂದಿಲ್ಲ ಮತ್ತು ದ್ರವ್ಯಾಶೆಯನ್ನು
ಮರೆಮಾಡುವದಕ್ಕಾಗಿ ವೇಷವನ್ನು ಹಾಕಿಕೊಂಡವರಾಗಿಲ್ಲ. ಇದಕಶಕೆ ದೇವರೇ ಸಾಕ್ಷಿ.
೬ ಇದಲ್ಲದೆ ನಾವು ಕ್ರಿಸ್ತನ ಅಪೋಸ್ತಲರಾಗಿರುವದರಿಂದನಮಗೆ ಗೌರವವನ್ನು ಕೊಡಬೇಕೆಂದು
ಹೇಳಬಹುದಾಗಿದ್ದರೂ ಮನುಷ್ಯರಿಂದ ಬರುವ ಮಾನವನ್ನುನಿಮ್ಮಿಂದಾಗಲಿ ಇತರರಿಂದಾಗಲಿ
ಹೊಂದಲಪೇಕ್ಷಿಸುವವರಾಗಿಲ್ಲ. ೭ ತಾಯಿಯೂ ತನ್ನ ಮಕ್ಕಳನ್ನು ಪೋಷಿಸುತ್ತಾಳೋ
ಎಂಬಂತೆನಾವು ನಿಮ್ಮ ಮಧ್ಯದಲಶಲಿವಾತ್ಸಲ್ಯದಿಂದ ನಡಕೊಂಡಿದ್ದೇವೆ. ೮ ನೀವು
ನಮಗೆ ಅತಿಪ್ರಿಯರಾದ ಕಾರಣ ನಾವು ನಿಮ್ಮಲ್ಲಿ ಮಮತೆಯುಳ್ಳವರಾಗಿ ದೇವರ
ಸುವಾರ್ತೆಯನ್ನು ಹೇಳುವದಕ್ಕೆ ಮಾತ್ರವಲ್ಲದೆ ನಿಮಗೋಸ್ಕರ ಪ್ರಾಣವನ್ನೇ ಕೊಡುವದಕ್ಕೆ

ಸಂತೋಷಿಸುವವರಾದೆವು. ೯ ಸಹೋದರರೇ, ನಾವು ನಿಮ್ಮಲ್ಲಿ ಯಾರ ಮೇಲೆಯೂ
ಭಾರಹಾಕಬಾರದೆಂದು ಹಗಲಿರುಳು ದುಡಿದು ಜೀವನ ಮಾಡಿಕೊಳ್ಳುತ್ತಾ ದೇವರ ಸುವಾರ್ತೆಯನ್ನು
ನಿಮಗೆ ಸಾರಿದೆವು. ಆ ನಮ್ಮ ಕಷ್ಟವೂ ಪ್ರಯಾಸವೂ ನಿಮ್ಮ ನೆನಪಿನಲ್ಲಿರುವದಷ್ಟೆ.
೧೦ನಂಬುವವರಾದ ನಿಮ್ಮ ವಿಷಯದಲ್ಲಿ ನಾವು ಎಷ್ಟೋ ಶುದ್ಧರಾಗಿಯೂ ನೀತಿವಂತರಾಗಿಯೂ
ನಿರ್ದೋಷಿಗಳಾಗಿಯೂ ನಡೆದುಕೊಂಡೆವೆಂಬದಕ್ಕೆ ನೀವೇ ಸಾಕ್ಷಿಗಳು.ದೇವರೂ ಸಾಕ್ಷಿ.
೧೧ ತಂದೆಯು ತನ್ನ ಮಕ್ಕಳಿಗೆ ಹೇಗೋ ಹಾಗೆಯೇ ನಾವು ನಿಮ್ಮಲ್ಲಿ ಪ್ರತಿಯೊಬ್ಬನಿಗೆ ಬುದ್ಧಿ
ಹೇಳುತ್ತಾ, ೧೨ ಧೈರ್ಯಪಡಿಸುತ್ತಾ ತನ್ನ ರಾಜ್ಯ ಪ್ರಭಾವಗಳಲ್ಲಿ ಪಾಲುಗಾರರಾಗುವದಕ್ಕೆ ಕರೆಯುವ
ದೇವರಿಗೆ ಯೋಗ್ಯರಾಗಿ ನೀವು ನಡೆಯಬೇಕೆಂದು ಖಂಡಿತವಾಗಿ ಹೇಳುತ್ತಾ ಇದ್ದೆವೆಂಬುದು
ನಿಮಗೇ ತಿಳಿದಿದೆ.

ಕ್ರೈಸ್ತಸಭೆಯವರಿಗೆ ಉಂಟಾದ ಹಿಂಸೆಯನ್ನೂ ಯಹೂದ್ಯರು ವಿರೋಧವನ್ನೂ ಕುರಿತದ್ದು.

೧೩ ಹೀಗಿರಲಾಗಿ ನೀವು ದೇವರ ವಾಕ್ಯಬನ್ನು ನಮ್ಮಿಂದ ಕೇಳಿದಾಗ ಅದನ್ನು ಮನುಷ್ಯರ
ವಾಕ್ಯವೆಂದೆಣಿಸದೆ ದೇವರ ವಾಕ್ಯವೆಂದೇ ತಿಳಿದು ಅಂಗೀಕರಿಸಿದ್ದಕ್ಕಾಗಿ ನಾವಂತೂ
ಎಡೆಬಿಡದೆ ದೇವರಿಗೆ ಕೃತಜ್ಞತಾಸ್ತುತಿ ಮಾಡುತ್ತೇವೆ. ಅದು ನಿಜವಾಗಿ ದೇವರ ವಾಕ್ಯವೇ. ಅದು
ವಂಬುವವರಾದ ನಿಮ್ಮೊಳಗೆ ಬಲವಾಗಿ ಕೆಲಸ ನಡಿಸುತ್ತದೆ. ೧೪ ಹೌದು ಸಹೋದರರೇ ನೀವು
ಯಹೋದಾಯದಲ್ಲಿ ಕ್ರಿಸ್ತ ಯೇಸುವಿನಲ್ಲಿರುವ ದೇವರ ಸಭೆಗಳನ್ನು ಅನುಸರಿಸುವವರಾದಿರಿ.
ಅವರು ಯೆಹೂದ್ಯರಿಂದ ಅನುಭವಿಸಿದಂಥ ಅನುಭವಿಸಿದಂಥ ಕಷ್ಯಗಳನ್ನು ನೀವೂ ನಿಮ್ಮ
ಸ್ವದೇಶದವರಿಂದ ಅನುಭವಿಸಿದಿರಿ. ೧೫ ಆ ಯೆಹೂದ್ಯರು ಕರ್ತನಾದ ಯೇಸುವನ್ನೂ
ಪ್ರವಾದಿಗಳನ್ನು ಕೊಂದರು. ನಮ್ಮನ್ನೂ ಅಟ್ಟಿಬಿಟ್ಟರು. ಅವರು ದೇವರನ್ನು ಮೆಚ್ಚಿಸುವವರಲ್ಲ.
ಎಲ್ಲಾ ಮನುಷ್ಯರಿಗೂ ವಿರೋಧಿಗಳಾಗಿದ್ದಾರೆ. ೧೬ ಅನ್ಯ ಜನರಿಗೆ ರಕ್ಷಣೆಯಾಗುವಂತೆ
ಸುವಾರ್ತೆಯನ್ನು ಹೇಳುವ ನಮಗೆ ಅಡ್ಡಿಮಾಡುತ್ತಾರೆ. ಹೀಗೆ ತಮ್ಮ ಪಾಪಕೃತ್ಯಗಳನ್ನು ಎಲ್ಲಾ
ಕಾಲಗಳಲ್ಲಿಯೂ ಪರಿಪೂರ್ಣಮಾಡುವದಕ್ಕೆ ಹೋಗುತ್ತಾರೆ. ಆದರೆ ದೇವರ ಕೋಪವು
ಅವರ ಮೇಲೆ ಸಂಪೂರ್ಣವಾಗುತ್ತಾ ಬಂತು. ಪೌಲನು ಥೆಸಲೋನಿಕದವರನ್ನು ನೋಡುವದಕ್ಕೆ
ಆಶೆಪಟ್ಟು ತಿಮೊಥೆಯನನ್ನು ಅವರ ಬಳಿಗೆ ಕಳುಹಿಸಿದ್ದು. ೧೭ ಸಹೋದರರೇ, ನಾವಂತೂ
ದೇಹದಲ್ಲಿ ಮಾತ್ರ ನಿಮ್ಮನ್ನು ಸ್ವಲ್ಪ ಕಾಲ ಅಗಲಿದರೂ ಹೃದಯದಲ್ಲಿ ಅಗಲದೆ ನಿಮ್ಮ ಮುಖವನ್ನು
ನೋಡುವದಕ್ಕೆ ಅತ್ಯಾಶೆಯಿಂದ ಬಹಳ ಪ್ರಯತ್ನ ಮಾಡಿದೆವು. ೧೮ ಯಾಕಂದರೆ ನಿಮ್ಮ
ಬಳಿಗೆ ಬರುವದಕ್ಕೆ ನಮಗೆ ಮನಸ್ಸಿತ್ತು. ಹೇಗೂ ಪೌಲವೆಂಬ ನಾನು ಒಂದೆರಡು ಸಾರೆ
ಬರುವದಕ್ಕಿದ್ದೆನು. ಆದರೆ ಸೈತಾನನು ನಮಗೆ ಅಭ್ಯಂತರ ಮಾಡಿದನು. ೧೯ ನಮ್ಮ ಕರ್ತನಾದ
ಯೇಸು ಪ್ರತ್ಯಕ್ಷನಾಗುವಾಗ ಆತನ ಮುಂದೆ ನಮ್ಮ ಭರವಸವೂ ನಮ್ಮ ಸಂತೋಷವೂ ನಾವು
ಹೊಗಳಿಕೊಳ್ಳುವ ಜಯಮಾಲೆಯೂ ಯಾರು? ನೀವೇ ಅಲ್ಲವೇ. ೨೦ನಿಜವಾಗಿ ನೀವೇ ನಮ್ಮ
ಗೌರವವೂ ಸಂತೋಷವೂ ಆಗಿದ್ದೀರಿ.

೩ ೧ ಆದುದರಿಂದ ಇನ್ನು ತಡೆಯಲಾರದೆ ನಾವು ಅಥೇನೆಯಲ್ಲಿ ಒಬ್ಬಂಟಿಗರಾಗಿಯೇ
ಇರುವದು ಒಳ್ಳೇದೆಂದು ಯೋಚಿಸಿ , ೨ ನಿಮ್ಮ ಮೇಲೆ ಬಂದಿರುವ ಸಂಕಟಗಳಲ್ಲಿ
ಒಬ್ಬರೂ ಚಂಚಲರಾಗದಂತೆ ನಿಮ್ಮನ್ನು ದೃಢಪಡಿಸುವದಕ್ಕೂ ನಿಮ್ಮ ನಂಬಿಕೆಯ ವೃದ್ಧಿಗಾಗಿ
ಪ್ರಬೋಧಿಸುವದಕ್ಕೂ ನಮ್ಮ ಸಹೋದರನೂ ಕ್ರಿಸ್ತನ ಸುವಾರ್ತೆ ಉದ್ಯೋಗದಲ್ಲಿ ದೇವರ
ಸೇವಕನೂ ಆಗಿರುವ ತಿಮೊಥೆಯನನ್ನು ನಿಮ್ಮ ಬಳಿಗೆ ಕಳುಹಿಸಿದೆವು. ೩ ಸಂಕಟಗಳನ್ನು
ಸನುಭವಿಸುವದಕ್ಕಾಗಿ ನಾವು ನೇಮಿಸಲ್ಪಟ್ಟವರೆಂದು ನೀವೇ ಬಲ್ಲಿರಷ್ಟರ. ೪ ನಾವು ನಿಮ್ಮ
ಬಳಿಯಲ್ಲಿದ್ದಾಗ ಸಂಕಟವನ್ನು ಅನುಭವಿಸಲೇ ಬೇಕೆಂದು ಮುಂದಾಗಿ ಹೇಳಿದೆವಲ್ಲಾ. ಅದರಂತೆ
ಆಯಿತು. ನಿಮ್ಮ ಅವಯಭವಕ್ಕೂ ಬಂತು. ೫ ಆದುದರಿಂದ ಇನ್ನು ತಡೆಯಲಾರದೆ ಒಂದು ವೇಳೆ
ಶೋಧಕನು ನಿಮ್ಮನ್ನು ಶೋಧಿಸಿದ್ದರಿಂದ ನಮ್ಮ ಪ್ರಯಾಸವು ವ್ಯರ್ಥವಾಯಿತೋ ಏನೋ
ಎಂದು ನಿಮ್ಮ ನಂಬಿಕೆಯ ವಿಷಯದಲ್ಲಿ ತಿಳುಕೊಳ್ಳುವದಕ್ಕೆ ಅವಣ್ನು ಕಳುಹಿಸಿದೆನು.
೬ ಆದರೆ ತಿಮೊಥೆಯನು ಈಗಲೇ ನಮ್ಮ ಬಳಿಗೆ ಬಂದು ನಿಮ್ಮ ವಿಶ್ವಾಸ ಪ್ರೀತಿಗಳ
ವಿಷಯವಾಗಿ ಶುಭವರ್ತಮಾನವನ್ನು ಹೇಳಿ ನೀವು ನಮ್ಮನ್ನು ಯಾವಾಗಲೂ ಚೆನ್ನಾಗಿ
ಜ್ಞಾಪಕಮಾಡಿಕೊಂಡು ನಾವು ನಿಮ್ಮನ್ನು ಹೇಗೋ ಹಾಗೆಯೇ ನೀವೂ ನಮ್ಮನ್ನು ನೋಡುವದಕ್ಕೆ
ಅಪೇಕ್ಷಿಸುತ್ತೀರೆಂಬದನ್ನು ತಿಳಿಸಿದ್ದಾನೆ. ೭ ಸಹೋದರರೇ, ಇದನ್ನು ಕೇಳಿ ನಮ್ಮ
ಎಲ್ಲಾ ಕೊರತೆಯಲ್ಲಿಯೂ ಸಂಕಟದಲ್ಲಿಯೂ ನಿಮ್ಮ ನಂಬಿಕೆಯ ಮುಖಾಂತರ ನಮಗೆ

ಆಧರಣೆಯಾಯಿತು. ೮ ನೀವು ಕರ್ತನಲ್ಲಿ ದೃಢವಾಗಿ ನಿಂತಿದ್ದರೆ ನಮಗೆ ಜೀವಕಳೆ. ೯ ನಿಮ್ಮ
ನಿಮಿತ್ತ ನಮ್ಮ ದೇವರ ಮುಂದೆ ನಮಗಿರುವ ಎಲ್ಲಾ ಸಂತೋಷಕ್ಕಾಗಿ ದೇವರಿಗೆ ತಕ್ಕಷ್ಟು
ಸ್ತೋತ್ರ ಮಾಡುವದು ನಮ್ಮಿಂದ ಹೇಗಾದೀತು? ೧೦ ನಿಮ್ಮ ಮುಖವನ್ನು ನೋಡುವದಕಕೂ
ನಿಮ್ಮ ಬಂಬಿಕೆಯ ಕೊರತೆಗಳನ್ನು ನೀಗುವದಕ್ಕೂ ನಮಗೆ ಅವುಕೂಲವಾಗಬೇಕೆಂದು ನಾವು
ಹಗಲಿರುಳು ದೇವರನ್ನು ಅತ್ಯಂತವಾಗಿ ಬೇಡುವವರಾಗಿದ್ದೇವೆ. ೧೧ ನಮ್ಮ ತಂದೆಯಾದ ದೇವರೂ
ನಮ್ಮ ಕರ್ತವಾದ ಯೇಸುವೂ ನಮಗೆ ನಿಮ್ಮ ಬಳಿಗೆ ಬರುವದಕ್ಕೆ ಮಾರ್ಗವನ್ನು ಸರಾಗಮಾಡಲಿ.
೧೨ ನಿಮ್ಮಲ್ಲಿ ನಮ್ಮ ಪ್ರೀತಿಯು ಹೇಗೋ ಹಾಗೆಯೇ ನಿಮ್ಮ ಪ್ರೀತಿಯೂ ಒಬ್ಬರೊಬ್ಬರ
ಮೇಲೆಯೂ ಎಲ್ಲಾ ಮನುಷ್ಯರ ಮೇಲೆಯೂ ಅಭಿವೃದ್ಧಿ ಹೊಂದಿ ಅತ್ಯಧಿಕವಾಗುವಂತೆ ಕರ್ತವು
ಅನುಗ್ರಹಿಸಲಿ. ೧೩ ನಮ್ಮ ಕರ್ತವಾದ ಯೇಸು ನಿಮ್ಮ ಹೃದಯಗಳನ್ನು ದೃಢಪಡಿಸಿ ತನ್ನ ಎಲ್ಲಾ
ಪರಿಶುದ್ಧ ಪರಿವಾರ ಸಮೇತ ಪ್ರತ್ಯಕ್ಷವಾದಾಗ ತಂದೆಯಾದ ದೇವರ ಸಮಕ್ಷಮದಲ್ಲಿ ನೀವು
ಪರಿಶುದ್ಧರು ನಿರ್ದೋಷಿಗಳೂ ಆಗಿರುವಂತೆ ಮಾಡಲಿ.

## ಕ್ರೈಸ್ತರಿಗೆ ಇರತಕ್ಕ ನಡವಳಿಯನ್ನು ಕುರಿತದ್ದು.

೪ ೧ ಕಡೇ ಮಾತೇನಂದರೆ ಸಹೋದರರೇ, ನಾವು ಕರ್ತನಾದ ಯೇಸುವಿನ ಅಧಿಕಾರದಿಂದ
ನಿಮಗೆ ಕೊಟ್ಟ ಆಜ್ಞೆಗಳನ್ನು ತಿಳಿದಿದ್ದೀರಷ್ಟೆ. ೨ ನೀವು ಹೇಗೆ ನಡೆದು ದೇವರನ್ನು
ಮೆಚ್ಚಿಸಬೇಕೋ ಅದನ್ನು ನಮ್ಮಿಂದ ಕಲಿತುಕೊಂಡು ಅದರಂತೆ ನಡೆಯುತ್ತಲೇ ಇದ್ದೀರಿ.
ನೀವು ಹಾಗೆಯೇ ಇನ್ನೂ ಹೆಚ್ಚಾಗಿ ನಡೆಯಬೇಕೆಂದು ನಿಮ್ಮನ್ನು ಬೇಡಿಕೊಂಡು ಯೇಸು
ಕರ್ತನಲ್ಲಿ ಪ್ರಬೋಧಿಸುತ್ತೇನೆ. ೩ ದೇವರ ಚಿತ್ತವೇನಂದರೆ ನೀವು ಶುದ್ಧರಾಗಬೇಕೆಂಬುದೇ.
ಆದದರಿಂದ ಹಾದರಕ್ಕೆ ದೂರವಾಗಿರಬೇಕು. ೪-೫ ದೇವರನ್ನರಿಯದ ಅನ್ಯಜನಗಳಂತೆ
ಕಾಮಾಭಿಲಾಷೆಗೆ ಒಳಪಡದೆನಿಮ್ಮಲ್ಲಿ ಪ್ರತಿಯೊಬ್ಬನು ಪವಿತ್ರವಾದ ಮನಸ್ಸಿನಿಂದನೂ
ಘನತೆಯಿಂದಲೂ ಧರ್ಮಪತ್ನಿಯನ್ನು ಸಂಪಾದಿಸಿಕೊಳ್ಳಲು ತಿಳಿಯಬೇಕು. ೬ ಈ
ವಿಷಯದಲ್ಲಿ ಯಾರೂ ತನ್ನ ಸಹೋದರನನ್ನು ವಂಚಿಸಿ ಕೇಡು ಮಾಡಬಾರದು. ನಾವು ಮುಂಚೆ
ತಿಳಿಸಿ ನಿಮಗೆ ಖಂಡಿತವಾಗಿ ಹೇಳಿದ ಪ್ರಕಾರ ಇವೆಲ್ಲವುಗಳ ವಿಷಯದಲ್ಲಿ ಕರ್ತವು
ಮುಯ್ಯಿಗೆ ಮುಯ್ಯಿ ತೀರಿಸುವವನಾಗಿದ್ದಾನೆ. ೭ ದೇವರು ನಮ್ಮನ್ನು ಬಂಡತನಕ್ಕೆ ಕರೆಯದೆ
ಶುದ್ಧರಾಗಿರುವದಕ್ಕೆ ಕರೆದನು. ೮ ಹೀಗಿರಲು ಈ ಮಾತನ್ನು ತಾತ್ಸಾರ ಮಾಡುವವನು ಮನುಷ್ಯನನ್ನು
ತಿರಸ್ಕರಿಸುವದು ಮಾತ್ರವಲ್ಲದೆ ಪವಿತ್ರಾತ್ಮವರವನ್ನು ನಿಮಗೆ ದಯಪಾಲಿಸುವ ದೇವರನ್ನೂ
ತಿರಸ್ಕರಿಸುತ್ತಾನೆ. ೯ ಸಹೋದರ ಸ್ನೇಹ ವಿಷಯದಲ್ಲಿ ನಿಮಗೆ ಬರೆಯುವದು ಅವಶ್ಯವಿಲ್ಲ.
ಒಬ್ಬರನ್ನೊಬ್ಬರು ಪ್ರೀತಿಸಬೇಕೆಂಬ ಉಪದೇಶವನ್ನು ನೀವೇ ದೇವರಿಂದ ಹೊಂದಿದವರಾಗಿದ್ದು
ಸಮಸ್ತ ಮಕೆದೋನ್ಯದಲ್ಲಿರುವ ಸಹೋದರರನ್ನೆಲ್ಲಾ ಪ್ರೀತಿಸುವವರಾಗಿಯೇ ಇದ್ದೀರಿ.
೧೦ ಆದರೆ ಸಹೋದರರೇ ನೀವು ಪ್ರೀತಿಯಲ್ಲಿ ಇನ್ನೂ ಹೆಚ್ಚುತ್ತಾ ಬರಬೇಕೆಂದು ನಿಮ್ಮನ್ನು
ಪ್ರಬೋದಿಸುತ್ತೇವೆ. ೧೧ ಇದಲ್ಲದೆ ನಾನು ನಿಮಗೆ ಆಜ್ಞೆ ಕೊಟ್ಟ ಪ್ರಕಾರ ನೀವು ಮತ್ತೊಬ್ಬರ
ಕಾರ್ಯದಲ್ಲಿ ತಲೆ ಹಾಕದೆ ಸುಮ್ಮಗಿದ್ದು ಸ್ವಂತ ಕಾರ್ಯವನ್ನೇ ನಡಿಸಿಕೊಂಡು ಕೈಯಾರೆ
ಕೆಲಸಮಾಡುವದೇ ಮಾನವೆಂದೆಣಿಸಿರಿ. ೧೨ ಹೀಗಿದ್ದರೆ ನೀವು ಹೊರಗಿನವರ ಎದುರಿನಲ್ಲಿ
ಸಜ್ಜನರಾಗಿ ನಡೆದುಕೊಳ್ಳುವಿರಿ. ಮತ್ತು ನಿಮಗೆ ಯಾವದಕ್ಕೂ ಕೊರತೆಯಿರುವದಿಲ್ಲ.

## ಯೇಸು ಕರ್ತನು ಪ್ರತ್ಯಕ್ಷನಾಗುವದಕ್ಕೆ ಮುಂಚಿತವಾಗಿ ಸಾಯುವ ಭಕ್ತರನ್ನು ಕುರಿತದ್ದು.

೧೩ ಸಹೋದರರೇ ನಿದ್ರೆ ಹೋಗುವವರ ಗತಿ ಏನೆಂದು ನೀವು ತಿಳಿಯದೆ ಇದ್ದು
ನಿರೀಕ್ಷೆಯಿಲ್ಲದವರಾದ ಇತರರಂತೆ ದುಃಖಿಸುವದು ನಮ್ಮ ಮನಸ್ಸಿಗೆ ಒಪ್ಪುವದಿಲ್ಲ. ೧೪ ಯೇಸು
ಸತ್ತು ಜೀವಿತನಾದ ಎದ್ದನೆಂದು ನಾವು ನಂಬಿದ ಮೇಲೆ ಅದರಂತೆ ಯೇಸುವಿನಲ್ಲಿದ್ದುಕೊಂಡು
ನಿದ್ರೆಹೋಗುವವರನ್ನು ಸಹ ದೇವರು ಅತನೊಡನೆ ಕರೆದುಕೊಂಡು ಬರುವನೆಂದು
ನಂಬಬೇಕಲ್ಲವೇ. ೧೫ ನಾವು ಕರ್ತನ ಮಾತಿನ ಆಧಾರದಿಂದ ನಿಮಗೆ ಹೇಳುವದೇನಂದರೆ ಕರ್ತನು
ಪ್ರತ್ಯಕ್ಷನಾಗುವವರೆಗೆ ಜೀವದಿಂದುಳಿದಿರುವ ನಾವು ನಿದ್ರೆಹೋದವರಿಗಿಂತ ಮುಂದಾಗುವದೇ
ಇಲ್ಲ. ೧೬ ಕರ್ತವು ತಾನೇ ಆಜ್ಞಾಘೋಷದೊಡನೆಯೂ ಪ್ರದಾವದೂತನ ಶಬ್ದದೊಡನೆಯೂ ದೇವರ
ತುತೂರಿಧ್ವನಿಯೊಡನೆಯೂ ಆಕಾಶದಿಂದ ಇಳಿದುಬರುವನು. ಆಗ ಕ್ರಿಸ್ತನಲ್ಲಿರುವ ಸತ್ತವರು
ಮೊದಲು ಎದ್ದು ಬರುವರು. ೧೭ ಆಮೇಲೆ ಜೀವದಿಂದುಳಿದಿರುವ ನಾವು ಅಂತರಿಕ್ಷದಲ್ಲಿ ಕರ್ತನನ್ನು
ಎದುರುಗೊಳ್ಳುವದಕ್ಕಾಗಿ ಅವರ ಸಂಗಡಲೇ ಮೇಘವಾಹನರಾಗಿ ಪಕ್ಕನೆ ಒಯ್ಯಲ್ಪಡುವೆವು.

ಹೀಗಾಗಿ ನಾವು ಸದಾಕಾಲವೂ ಕರ್ತನ ಜೊತೆಯಲ್ಲಿರುವೆವು. ೧೮ ಆದಕಾರಣ ಈ ಮಾತುಗಳಿಂದ
ಒಬ್ಬರನ್ನೊಬ್ಬರು ಸತ್ಯೈಸಿರಿ.
೫ ೧ ಸಹೋದರರೇ, ಈ ಸಂಗತಿಗಳು ನಡೆಯಬೇಕಾದ ಕಾಲಗಳನ್ನೂ ಗಳಿಗೆಗಳನ್ನೂ
ಕುರಿತು ನಿಮಗೆ ಬರೆಯುವದು ಅವಶ್ಯವಿಲ್ಲ. ೨ ರಾತ್ರಿ ಕಾಲದಲ್ಲಿ ಕಳ್ಳನು ಹೇಗೆ
ಬರುತ್ತಾನೋ ಹಾಗೆಯೇ ಕರ್ತನ ದಿನವು ಬರುವದೆಂದು ನೀಬೇ ಚೆನ್ನಾಗಿ ತಿಳಿದ್ದೀರಲ್ಲಾ.
೩ ಸಮಾಧಾಮವಾಗಿಯೂ ನಿರ್ಭಯವಾಗಿಯೂ ಇರುತ್ತೇವೆಂದು ಜನರು ಹೇಳುತ್ತಿರುವಾಗಲೇ
ಅವರ ಮೇಲೆ ನಾಶನವು ಗರ್ಭಿಣಿಗೆ ಪ್ರಸವ ವೇದನೆ ಬರುವ ಪ್ರಕಾರ ಬರುವದು.
೪ ಆದರೆ ಸಹೋದರರೇ, ಆ ದಿನವು ಕಳ್ಳನಂತೆ ನಿಮ್ಮ ಮೇಲೆ ಬರತಕ್ಕದ್ದಲ್ಲ. ನೀವು
ಕತ್ತಲೆಯಲ್ಲಿರುವವರಲ್ಲ. ೫ ನೀವೆಲ್ಲರು ಬೆಳಕಿನವರೂ ಹಗಲಿನವರೂ ಆಗಿದ್ದೀರಷ್ಟೆ.ನಾವು
ರಾತ್ರಿಯವರೂ ಅಲ್ಲ. ಕತ್ತಲೆಯವರೂ ಅಲ್ಲ. ೬ ಆದಕಾರಣ ನಾವು ಇತರರಂತೆ ನಿದ್ದೆ ಮಾಡದೆ
ಎಚ್ಚರವಾಗಿರಕೋಣ, ಸ್ವಸ್ಥಚಿತ್ತರಾಗಿರಕೋಣ. ೭ ನಿದ್ರೆಮಾಡುವವರು ರಾತ್ರಿಯಲ್ಲಿ ನಿದ್ದೆ
ಮಾಡುತ್ತಾರೆ. ಅಮಲೇರುವವರು ರಾತ್ರಿಯಲ್ಲಿ ಅಮಲೇರುತ್ತಾರಷ್ಟೆ ೮ ನಾವಾದರೋ
ಹಗಲಿನವರಾಗಿರಲಾಗಿ ವಿಶ್ವಾಸ ಪ್ರೀತಿಗಳೆಂಬ ವಜ್ರಕವಚವನ್ನೂ ರಕ್ಷಣೆಯ ನಿರೀಕ್ಷೆಯೆಂಬ
ಶಿರಸ್ತ್ರಾಣವನ್ನೂ ಧರಿಸಿಕೊಂಡು ಸ್ವಸ್ಥಚಿತ್ತರಾಗಿರಕೋಣ. ೯ ಯಾಕಂದರೆ ದೇವರು ನಮ್ಮನ್ನು
ತನ್ನ ಕೋಪಕ್ಕೆ ಗುರಿಯಾಗಬೇಕೆಂದು ನೇಮಿಸದೇ ನಾವು ನಮ್ಮ ಕರ್ತನಾದ ಯೇಸು
ಕ್ರಿಸ್ತನ ಮೂಲಕವಾಗಿ ರಕ್ಷಣೆಯನ್ನು ಸಂಪಾದಿಸಿಕೊಳ್ಳಬೇಕೆಂದು ನೇಮಿಸಿದನು. ೧೦ ನಾವು
ಎಚ್ಚರವಾಗಿದ್ದರೂ ಸರಿಯೇ ನಿದ್ರೆಯಲ್ಲಿದ್ದರೂ ಸರಿಯೇ ತನ್ನ ಜೊತೆಯಲ್ಲಿಯೇ
ಜೀವಿಸಬೇಕೆಂದು ಆಲನು ನಮಗೋಸ್ಕರ ಸತ್ತನು. ೧೧ ಆದದರಿಂದ ನೀವು ಈಗ ಮಾಡುತ್ತಿರುವ
ಪ್ರಕಾರವೇ ಒಬ್ಬರನ್ನೊಬ್ಬರು ಸಂತೈಸಿಕೊಳ್ಳುತ್ತಾ ಒಬ್ಬರ ಭಕ್ತಿಯನ್ನೊಬ್ಬರು ವೃದ್ಧಿಹಡಿಸುತ್ತಾ ಇರ್ರಿ.

## ಕ್ರೈಸ್ತರು ಅನುಸರಿಸತಕ್ಕ ಕೆಲವು ಸೂತ್ರಗಳು

೧೨ ಸಹೋದರರೇ, ಯಾರು ನಿಮ್ಮಲ್ಲಿ ಪ್ರಯಾಸಪಟ್ಟು ಕರ್ತನ ಕಾರ್ಯಗಳಲ್ಲಿ ನಿಮ್ಮ ಮೇಲೆ
ಮುಖ್ಯಸ್ಥರಾಗಿದ್ದು ನಿಮಗೆ ಬುದ್ಧಿ ಹೇಳುತ್ತರೋ, ೧೩ ಅವರನ್ನು ಲಕ್ಷಿಸಿ ಅವರ ಕೆಲಸದ ನಿಮಿತ್ತ
ಅವರನ್ನು ಪ್ರೀತಿಯಿಂದ ಬಹಳವಾಗಿ ಸನ್ಮಾನಮಾಡಬೇಕೆಂದು ನಿಮ್ಮನ್ನು ಬೇಡಿಕೊಳ್ಳುತ್ತೇವೆ.
ನಿಮ್ಮ ನಿಮ್ಮೊಳಗೆ ಸಮಾಧಾನವಾಗಿರಿ. ೧೪ ಸಹೋದರರೇ, ಅಕ್ರಮವಾಗಿ ನಡೆಯುವವರಿಗೆ
ಬುದ್ಧಿಹೇಳಿರಿ. ಮನಗುಂದಿದವರನ್ನು ಧೈರ್ಯಪಡಿಸಿರಿ. ಬಲಹೀನರಿಗೆ ಆಧಾರವಾಗಿರಿ
ಎಲ್ಲರಲ್ಲಿಯೂ ದೀರ್ಘಶಾಂತರಾಗಿರಿ ಎಂದು ನಿಮ್ಮನ್ನು ಪ್ರಬೋಧಿಸುತ್ತೇವೆ. ೧೫ ಯಾರೂ
ಅಪಕಾರಕ್ಕೆ ಅಪಕಾರಮಾಡದಂತೆ ನೋಡಿಕೊಳ್ಳಿರಿ. ಯಾವಾಗಲೂ ನೀವು ಒಬ್ಬರಿಗೊಬ್ಬರು
ಹಿತವನ್ನು ಮಾಡುವವರಾಗಿರಿ. ೧೬-೧೭ ಯಾವಾಗಲೂ ಸಂತೋಷಿಸಿರಿ. ಎಡೆಬಿಡದೆ
ಪ್ರಾರ್ಥನೆಮಾಡಿರಿ. ೧೮ ಎಲ್ಲಾದರಲ್ಲಿಯೂ ಕೃತಜ್ಞತಾಸ್ತುತಿಮಾಡಿರಿ. ಇದೇ ನಿಮ್ಮ ವಿಷಯವಾಗಿ
ಕ್ರಿಸ್ತ ಯೇಸುವಿನಲ್ಲಿ ತೋರಿಬಂದ ದೇವರ ಚಿತ್ತ. ೧೯-೨೦ ಪವಿತ್ರಾತ್ಮವನ್ನು ನಂದಿಸಬೇಡಿರಿ.
ಪ್ರವಾದವೆಗಳನ್ನು ಹಿನ್ಯೈಸಬೇಡಿರಿ. ೨೧ ಆದರೆ ಎಲ್ಲವನ್ನೂ ಪರಿಶೋಧಿಸಿ ಒಳ್ಳೇದನ್ನೇ
ಭದ್ರವಾಗಿ ಹಿಡಿದುಕೊಳ್ಳಿರಿ. ೨೨ ಸಕಲವಿಧವಾದ ಕೆಟ್ಟತನಕ್ಕೆ ದೂರವಾಗಿರಿ.

## ಸಮಾಪ್ತಿ ವಾಕ್ಯಗಳು.

೨೩ ಶಾಂತಿದಾಯಕವಾದ ದೇವರು ತಾನೇ ನಿಮ್ಮನ್ನು ಪರಿಪೂರ್ಣವಾಗಿ ಪವಿತ್ರಮಾಡಲಿ.
ಕರ್ತನಾದ ಯೇಸು ಕ್ರಿಸ್ತವು ಪ್ರತ್ಯಕ್ಷನಾದಾಗ ನಿಮ್ಮ ಆತ್ಮಪ್ರಾಣ ಶರೀರಗಳು ದೋಷವಿಲ್ಲದೆ
ಸಂಪೂರ್ಣವಾಗಿ ಕಾಣಿಸುವಂತೆ ಕಾಪಾಡಲ್ಪಡಲಿ. ೨೪ ನಿಮ್ಮನ್ನು ಕರೆಯುವವನು ನಂಬಿಗಸ್ತನು.
ಆತನು ತನ್ನ ಕಾರ್ಯಸಾಧಿಸುವನು.
೨೫ ಸಹೋದರರೇ, ನಮಗೋಸ್ಕರ ಪ್ರಾರ್ಥನೆ ಮಾಡಿರಿ. ೨೬ ಪವಿತ್ರವಾದ ಮುದ್ದಿಟ್ಟು
ಸಹೋದರರನ್ನು ವಂದಿಸಿರಿ. ೨೭ ಈ ಪತ್ರಿಕೆಯನ್ನು ಸಹೋದರರೆಲ್ಲರಿಗೂ ಓದಿ ಹೇಳಬೇಕೆಂದು
ನಿಮಗೆ ಕರ್ತನ ಆಣೆ ಇಡುತ್ತೇನೆ.
೨೮ ನಮ್ಮ ಕರ್ತವಾದ ಯೇಸು ಕ್ರಿಸ್ತನ ಕೃಪೆಯು ನಿಮ್ಮೊಂದಿಗಿರಲಿ.

# ಪೌಲನು ಥೆಸಲೋನಿಕದವರಿಗೆ ಬರೆದ ಎರಡನೆಯ

## ಪತ್ರಿಕೆ

೧ ೧ ನಮ್ಮ ತಂದೆಯಾದ ದೇವರಲ್ಲಿಯೂ ಕರ್ತನಾದ ಯೇಸು ಕ್ರಿಸ್ತನಲ್ಲಿಯೂ
ಇರುವ ಥೆಸಲೋನಿಕದವರ ಸಭೆಗೆ ಪೌಲ ಸಿಲ್ವಾನ ತಿಮೊಥೆಯ ಎಂಬ ನಾವು
ಬರೆಯುವದೇನಂದರೆ, – ೨ ತಂದೆಯಾದ ದೇವರಿಂದಲೂ ಕರ್ತನಾದ ಯೇಸು ಕ್ರಿಸ್ತನಿಂಲೂ
ನಿಮಗೆ ಕೃಪೆಯು ಶಾಂತಿಯೂ ಆಗಲಿ.

## ದೇವರಿಗೆ ಕೃತಜ್ಞತಾಸ್ತುತಿ

೩ ಸಹೋದರರೇ ನಾವು ಯಾವಾಗಲೂ ನಿಮ್ಮ ವಿಷಯದಲ್ಲಿ ದೇವರಿಗೆ ಕೃತಜ್ಞತಾಸ್ತುತಿ
ಮಾಡುವದಕ್ಕೆ ಬದ್ಧರಾಗಿದ್ದೇವೆ. ಹಾಗೆ ಮಾಡುವದು ಯೋಗ್ಯ. ಯಾಕಂದರೆ ನಿಮ್ಮ ನಂಬಿಕೆಯು
ಬಹಳ ಅಭಿವೃದ್ಧಿ ಹೊಂದುತ್ತಾ ಬರುತ್ತದೆ. ಪರಸ್ಪರವಾದ ಪ್ರೀತಿ ನಿಮ್ಮೆಲ್ಲರಲ್ಲಿಯೂ ಹೆಚ್ಚುತ್ತಾ
ಬರುತ್ತದೆ ೪ ಹೀಗಿರುವದರಿಂದ ನಿಮಗೆ ಬಂದಿರುವ ಎಲ್ಲಾ ಬಿಂಸೆಗಳಲ್ಲಿಯೂ ನೀವು
ಅವುಭವಿಸುತ್ತಿರುವ ಎಲ್ಲಾ ಸಂಕಟಗಳಲ್ಲಿಯೂ ತೋರಿ ಬಂದ ನಿಮ್ಮ ತಾಳ್ಮೆ ನಂಬಿಕೆಗಳನ್ನು
ನೆನಸಿ ನಿಮ್ಮ ವಿಷಯವಾಗಿ ಹೆಚ್ಚಳಪಟ್ಟು, ದೇವರ ಸಭೆಯೊಳಗೆ ನವೇ ಮಾತಾಡುತ್ತೇವೆ.

ಕರ್ತನಾದ ಯೇಸು ಪ್ರತ್ಯಕ್ಷನಾದಾಗ ಆತವಿಗೋಸ್ಕ ಹಿಂಸೆಪಟ್ಟವರಿಗೆ ಉಪಶಾಂತಿಯೂ
ವೈರಿಗಳಿಗೆ ದಂಡನೆಯೂ ಉಂಟಾಗಿವ ಭರವಸೆ. ೫ ದೇವರು ನ್ಯಾಯವಾದ ತೀರ್ಪು
ಮಾಡುತ್ತಾವೆಂಬದಕ್ಕೆ ನಿಮ್ಮ ತಾಳ್ಮೆಯು ಸ್ಪಷ್ಟವಾದ ನಿದರ್ಶನವಾಗಿದೆ. ಯಾವ
ದೇವರಾಜ್ಯಕ್ಕೋಸ್ಕರ ನೀವು ಕಷ್ಟವನ್ನನುಭವಿಸುತ್ತೀರೋ ಅದಕ್ಕೆ ನೀವು
ಯೋಗ್ಯರಾಗಬೇಕೆಂಬದೇ ದೇವರ ಅಭಿಪ್ರಾಯ. ೬ ನಿಮ್ಮನ್ನು ಸಂಕಟ ಪಡಿಸುವವರಿಗೆ
ಪ್ರತಿಯಾಗಿ ಸಂಕಟವನ್ನೂ ಸಂಕಟಪಗಿವವರಾದ ನಿಮಗೆ ನಮ್ಮೊಡನೆ ಉಪಶಮನವನ್ನೂ
ಕೊಡುವನು. ದೇವರ ಎಣಿಕೆಯಲ್ಲಿ ನ್ಯಾಯವಾಗಿದೆಯಷ್ಟೆ. ೭ ಯಾವಾಗ ಕೊಡುವನೆಂದರೆ
ಯೇಸು ಕರ್ತನು ತನ್ನ ಶಕ್ತಿಯನ್ನು ತೋರ್ಪಡಿಸುವ ದೇವದೂತರಿಂದ ಕೂಡಿದವನಾಗಿ ಉರಿಯುವ
ಬೆಂಕಿಯಲ್ಲಿ ಆಕಾಶದಿಂದ ಪ್ರತ್ಯಕ್ಷವಾಗುವ ಕಾಲದಲ್ಲಿ ಅದನ್ನು ಕೊಡುವನು. ೮ ಆಇ ನಮ್ಮ ಕರ್ತವಾದ
ಯೇಸುವು ದೇವರನ್ನರಿಯದವರಿಗೂ ತನ್ನ ಸುವಾರ್ತೆಗೆ ಒಳಪಡದವರಿಗೂ ಪ್ರತಿಕಾರವನ್ನು
ಸಲ್ಲಿಸುವನು. ೯–೧೦ ಆ ದಿವದಲ್ಲಿ ಆತನು ತನ್ನ ಪವಿತ್ರರ ಮೂಲಕ ಪ್ರಭಾವ ಹೊಂದುವವನಾಗಿಯೂ
ನಾವು ನಿಮಗೆ ಹೇಳಿದ ಸಾಕ್ಷಿಯನ್ನು ನಂಬಿದವರೆಲ್ಲರ ಮೂಲಕ ತನ್ನ ವಿಷಯದಲ್ಲಿ ಆಶ್ಚರ್ಯ
ಹುಟ್ಟಿಸುವವನಾಗಿಯೂ ಬರುವಾಗ ಅಂಥವರು ಕರ್ತವ ಸಮ್ಮುಖಕ್ಕೂ ಆತವ ಪರಾಕ್ರಮದ
ವೈಭವಕ್ಕೂ ದೂರವಾಗಿ ನಿತ್ಯನಾಶನವೆಂಬ ದಂಡವೆಯನ್ನು ಅನುಭವಿಸುವರು. ೧೧ ಆ ದಿನವನ್ನು
ನಾವು ಎದುರುನೋಡುತ್ತಾ ನಿಮಗೋಸ್ಕರ ಯಾವಾಗಲೂ ಪ್ರಾರ್ಥವೆಮಾಡಿ –ವಮ್ಮ ದೇವರು
ನಿಮ್ಮನ್ನು ಕರೆದದ್ದಕ್ಕೆ ತಾನೇ ನಿಮ್ಮನ್ನು ಯೋಗ್ಯರೆಂದು ಎಣಿಸಬೇಕೆಂತಲೂ ಸತ್ಕ್ರಿಯೆಗಳಲ್ಲಿ
ಸಂತೋಷಿಸುವ ನಿಮ್ಮ ಸಕಲ ಆಲೋಚನೆಯನ್ನೂ ನಂಬಿಕೆಯ ಫಲವಾದ ನಿಮ್ಮ ಕೆಲಸವನ್ನೂ
ಶಕ್ತಿಪೂರ್ವಕವಾಗಿ ಸಿದ್ಧಿಗೆ ತರಬೇಕೆಂತಲೂ ಬೇಡಿಕೊಳ್ಳುತ್ತೇನೆ. ೧೨ ಹೀಗಾದರೆ ನಮ್ಮ ದೇವರ
ಮತ್ತು ಕರ್ತನಾದ ಯೇಸು ಕ್ರಿಸ್ತನ ಕೃಪೆಯಿಂದ ನಿಮ್ಮ ಮೂಲಕ ನಮ್ಮ ಕರ್ತನಾದ ಯೇಸುವಿನ
ಹೆಸರಿಗೆ ಮಹಿಮೆ ಉಂಟಾಗಿವದು. ಆತನ ಮೂಲಕ ನಿಮಗೂ ಮಹಿಮೆ ಉಂಟಾಗುವದು.

## ಕರ್ತನಾದ ಯೇಸು ಪ್ರತ್ಯಕ್ಷನಾಗುಬದಕ್ಕೆ ಮುಂಚಿತವಾಗಿ ಅನೇಕ ಸಂಗತಿಗಳು ನಡೆಯಬೇಕು

೨ ೧ ಸಹೋದರರೇ, ನಮ್ಮ ಕರ್ತನಾದ ಯೇಸು ಕ್ರಿಸ್ತನ ಪ್ರತ್ಯಕ್ಷತೆಯ ವಿಷಯವಾಗಿಯೂ
ನಾವು ಆತನ ಬಳಿಯಲ್ಲಿ ಕೂಡಿಕೊಳ್ಳುವದರ ವಿಷಯವಾಗಿಯೂ ನಿಮ್ಮನ್ನು
ಬೇಡಿಕೊಳ್ಳುವದೇನಂದರೆ- ೨ ಕರ್ತವ ದಿನವು ಈಗಲೇ ಹತ್ತಿರವಾಯಿತೆಂಬದಾಗಿ ದೇವರಾತ್ಮ
ಪ್ರೇರಿತವಾದ ನುಡಿ ಇದೆ ಎಂದಾಗಲಿ ಪೌಲನು ಹಾಗೆ ಹೇಳಿದನೆಂದಾಗಲಿ ಪೌಲನು ಹಾಗೆ
ಬರೆದನೆಂದಾಗಲಿಯಾರಾದರೂ ಹೇಳಿದರೂ ನೀವು ಬೇಗನೆ ಬುದ್ಧಿಗೆಟ್ಟು ಚಂಚಲರಾಗಿ
ಕಳವಳಪಡಬೇಡಿರಿ. ೩ ಯಾರೂ ಯಾವ ವಿಧದಲ್ಲಿಯೂ ನಿಮ್ಮನ್ನು ಮೋಸಗೊಳಿಸದಂತೆ

ನೋಡಿಕೊಳ್ಳಿರಿ.ಯಾಕಂದರೆ ಮೊದಲು ಮತ ಭ್ರಷ್ಟತೆಯು ಉಂಟಾಗಿ ಅಧರ್ಮಸ್ವರೂದನು
ಬೈಲಿಗೆ ಬಂದ ಹೊರತು ಆ ದಿನವು ಬರುವದಿಲ್ಲ. ೪ ಯಾವುದು ದೇವರೆನಿಸಿಕೊಳ್ಳುತ್ತದೋ
ಯಾವದು ಪೂಜೆ ಹೊಂದುತ್ತದೋ ಅದನ್ನೆಲ್ಲಾ ನಾಶನಕ್ಕೆ ಅಧೀನನಾದ ಆ ಪುರುಷನು ಎದುರಿಸಿ
ಅದಕ್ಕಿಂತ ಮೇಲಾಗಿ ತನ್ನನ್ನು ತಾನೇ ಹೆಚ್ಚಿಸಿಕೊಂಡು ತಾನು ದೇವರೆಂದು ಹೇಳಿಕೊಂಡು
ದೇವರ ಗರ್ಭಗುಡಿಯಲ್ಲೇ ಕೂತುಕೊಳ್ಳುತ್ತನೆ. ೫ ನಾನು ನಿಮ್ಮ ಸಂಗಡ ಇದ್ದಾಗ ಈ ಸಂಗತಿಗಳನ್ನು
ಹೇಳಿದ್ದು ಜ್ಞಾಪಕವಿಲ್ಲವೋ? ೬ ಇದಲ್ಲದೆ ಆ ಮನುಷ್ಯನು ನೇಮಕವಾದ ಸಮಯದಲ್ಲೇ ಹೊರತು
ಬೈಲಿಗೆ ಬರುವದಕ್ಕೆ ಏನು ಅಡ್ಡಿ ಮಾಡುತ್ತದೋ ಅದು ನಿಮಗೆ ತಿಳಿದೇ ಇದೆ ೭ ಅಧರ್ಮವು
ಈಗಲೂ ಗುಪ್ತವಾಗಿ ತನ್ನ ಕಾರ್ಯವನ್ನು ಸಾಧಿಸುತ್ತದೆ. ಆದರೆ ಇದುವರೆಗೆ ಅಡ್ಡಿ ಮಾಡುವವನು
ತೆಗೆದುಬಿಡಲ್ಪಡುವ ತನಕ ಅದು ಗುಪ್ತವಾಗಿಯೇ ಇರುವದು. ೮ ಅವನು ತೆಗೆದು ಬಿಡಲ್ಪಟ್ಟ
ಕೂಡಲೆ ಆ ಅಧರ್ಮ ಸ್ವರೂಪನು ಕಾಣಬರುವನು. ಅವನನ್ನು ಯೇಸು ಕರ್ತನು ಬಾಯುಸಿರಿನಿಂದ
ಕೊಲ್ಲುವನು. ತನ್ನ ಪ್ರತ್ಯಕ್ಷತೆಯ ಪ್ರಕಾಶದಿಂದಸಂಹರಿಸುವನು. ೯ ಆ ಅಧರ್ಮಸ್ವರೂಪನ
ಪ್ರತ್ಯಕ್ಷತೆಯು ಸೈತಾನನ ಮಾಟಕ್ಕನುಗುಣವಾಗಿರುವದು. ಅದು ಮೋಸಗೊಳಿಸುವ ಸಕಲ
ವಿಧವಾದ ಮಹತ್ಕಾರ್ಯ, ಸೂಚಕಕಾರ್ಯ,ಅಧ್ಭುತಕಾರ್ಯ ಇವುಗಳಿಂದಲೂ ದುರ್ನೀತಿಯ ಎಲ್ಲಾ
ವಂಚನೆಯಿಂದಲೂ ಕೂಡಿ ನಾಶನ ಮಾರ್ಗದಲ್ಲಿರುವವರಿಗೋಸ್ಕರ ಸಂಭವಿಸಿವದು. ೧೦ ಅವರು
ಸತ್ಯದ ಮೇಲೆ ಪ್ರೀತಿಯನ್ನಿಡದ ಕಾರಣದಿಂದ ರಕ್ಷಣೆಯನ್ನು ಹೊಂದದೆ ನಾಶವಾಗುತ್ತಾರೆ.
೧೧ ಅದೇ ಕಾರಣದಿಂದ ದೇವರು ಅಸತ್ಯ ನಡೆಸುವ ಭ್ರಮೆಯನ್ನು ಅವರಲ್ಲಿಗೆ ಕಳುಹಿಸಿ
ಆ ಸುಳ್ಳನ್ನು ನಂಬುವದಕ್ಕೆ ಅವರನ್ನು ಬಿಡುತ್ತಾವೆ. ೧೨ ಸತ್ಯವನ್ನು ನಂಬದೆ ಅನೀತಿಯಲ್ಲಿ
ಆನಂದಪಡುವವರೆಲ್ಲರೂ ಈ ಪ್ರಕಾರ ನ್ಯಾಯತೀರ್ಪಿಗೆ ಒಳಗಾಗುವರು.

## ಪೌಲನು ಥೆಸಲೋನಿಕದವರಿಗಾಗಿ ಮಾಡುವ ಕೃತಜ್ಞತಾಸ್ತುತಿಯೂ ವಿಜ್ಞಾಪನೆಯೂ

೧೩ ಕರ್ತನಿಗೆ ಪ್ರೀಯರಾಗಿರುವ ಸಹೋದರರೇ ನೀವು ಪವಿತ್ರಾತ್ಮನಿಂದ
ಶುದ್ಧೀಕರಿಸಲ್ಪಟ್ಟವರಾಗಿ ಸತ್ಯದ ಮೇಲೆ ನಂಬಿಕೆಯನ್ನಿಟ್ಟು ರಕ್ಷಣೆಯನ್ನು ಪಡೆಯುವದಕ್ಕಾಗಿ
ನಿಮ್ಮನ್ನು ಆದಿಯಿಂದ ಆರಿಕೊಂಡದರಿಂದ ನಾವು ನಿಮ್ಮ ವಿಷಯದಲ್ಲಿ ಯಾವಾಗಲೂ
ದೇವರಿಗೆ ಕೃತಜ್ಞತಾಸ್ತುತಿ ಮಾಡುವದಕ್ಕೆ ಬದ್ಧರಾಗಿದ್ದೇವೆ. ೧೪ ನೀವು ಹೇಗೆ ರಕ್ಷಿಸಲ್ಪಟ್ಟು
ನಮ್ಮ ಕರ್ತನಾದ ಯೇಸು ಕ್ರಿಸ್ತನ ಪ್ರಭಾವವನ್ನು ಸಂಪಾದಿಸಿಕೊಳ್ಳಬೇಕೆಂದು ದೇವರು ನಮ್ಮ
ಸುವಾರ್ತೆಯ ಮೂಲಕವಾಗಿ ನಿಮ್ಮನ್ನು ಕರೆದನು. ೧೫ ಹೀಗಿರುವದರಿಂದ ಸಹೋದರರೇ.
ದೃಡವಾಗಿ ನಿಲ್ಲಿರಿ. ನಾವು ಮಾತಿನಿಂದಾಗಲಿ ಪತ್ರಿಕೆಯಿಂದಾಗಲಿ ನಿಮಗೆ ತಿಳಿಸಿದ
ಬೋಧನೆಗಳನ್ನು ನೀವು ಭದ್ರವಾಗಿ ಹಿಡಿದುಕೊಂಡಿರ್ರಿ. ೧೬ ಮತ್ತು ನಮ್ಮನ್ನು ಪ್ರೀತಿಸಿ ನಮಗೆ
ನಿತ್ಯವಾದ ಆಧರಣೆಯನ್ನೂ ಉತ್ತಮವಾದ ನಿರೀಕ್ಷೆಯನ್ನೂ ಕೃಪೆಯಿಂದ ಅನುಗ್ರಹಿಸಿದ ನಮ್ಮ
ತಂದೆಯಾದ ದೆವರೂ ನಮ್ಮ ಕರ್ತವಾದ ಯೇಸು ಕ್ರಿಸ್ತನೂನಿಮ್ಮ ಹೃದಯಗಳನ್ನು ಸಂತೈಸಿ,
೧೭ ಸಕಲ ಸತ್ಕಾರ್ಯದಲ್ಲಿಯೂ ಸದ್ವಾಕ್ಯದಲ್ಲಿಯೂ ದೃಡಪಡಿಸಲಿ.

೩ ೧ ಕಡೇ ಮಾತೇನಂದರೆ ಸಹೋದರರೇ, ನಮಗೋಸ್ಕರ ಪ್ರಾರ್ಥನೆ ಮಾಡಿರಿ.ಕರ್ತನ
ವಾಕ್ಯವು ನಿಮ್ಮಲ್ಲಿ ಹಬ್ಬಿದ ಪ್ರಕಾರ ಎಲ್ಲೆಲ್ಲಿಯೂ ಬೇಗನೆ ಹಬ್ಬಿ ಪ್ರಖ್ಯಾತಿ ಹೊಂದು
ಹಾಗೆಯೂ ೨ ದೇವರು ನಮ್ಮನ್ನು ಮೂರ್ಖರಾದ ದುಷ್ಟಜನರ ಕೈಯಿಂದ ತಪ್ಪಿಸುವ ಹಾಗೆಯೂ
ಪ್ರಾರ್ಥಿಸಿರಿ.ಎಲ್ಲರಲ್ಲಿ ಕ್ರಿಸ್ತ ನಂಬಿಕೆ ಇಲ್ಲವಲ್ಲಾ. ೩ ಆದಜೆ ಕರ್ತನು ನಂಬಿಗಸ್ತನು. ಆತನು
ನಿಮ್ಮನ್ನು ದೃಡಪಡಿಸಿ ನೀವು ಕೆಡುಕನ ಕೈಗೆ ಸಿಕ್ಕದಂತೆ ಕಾಪಾಡುವನು. ೪ ನಾವು ಆಜ್ಞಾಪಿಸುವ
ಪ್ರಾಕಾರ ನೀವು ಮಾಡುತ್ತೀರೆಂತಲೂ ಮುಂದೆಯೂ ಮಾಡುವಿರೆಂತಲೂನಿಮ್ಮ ವಿಷಯದಲ್ಲಿ
ಕರ್ತನ ಮೂಲಕವಾಗಿ ನಮಗೆ ಭರವಸವುಂಟು. ೫ ದೇವರ ಪ್ರೀತಿಯಲ್ಲಿಯೂ, ಕ್ರಿಸ್ತನ
ತಾಳ್ಮೆಯಲ್ಲಿಯೂ ಸೇರುವಂತೆ ಕರ್ತನೇನಿಮ್ಮನ್ನು ನಡಿಸಲಿ.

## ಕ್ರೈಸ್ತರು ಕ್ರಮವಾಗಿ ನಡೆದು ಕೆಲಸ ಮಾಡಿ
## ಉಪಜೀವನವನ್ನು ಮಾಡಿಕೊಳ್ಳಬೇಕೆಂಬಯವ ಬೋಧೆ.

೬ ಸಹೋದರರೇ, ನಮ್ಮಿಂದ ಹೊಂದಿದ ಬೋಧನೆಯನ್ನು ಅನುಸರಿಸದೆ ಅಕ್ರಮವಾಗಿ
ನಡೆಯುವ ಪ್ರತಿ ಸಹೋದರನಿಗೆ ನೀವು ದೂರವಾಗಿರಬೇಕೆಂದು ನಮ್ಮ ಕರ್ತನಾದ
ಯೇಸು ಕ್ರಿಸ್ತನ ಹೆಸರಿನಲ್ಲಿ ನಿಮಗೆ ಆಜ್ಞಾಪಿಸುತ್ತೇನೆ. ೭ ನೀವು ನಮ್ಮನ್ನು ಅನುಸರಿಸಿ
ಹೇಗೆ ನಡೆಯಬೇಕೆಂದು ನೀವೇ ಬಲ್ಲಿರಿ. ನಾವು ನಿಮ್ಮಲ್ಲಿ ಅಕ್ರಮವಾಗಿ ನಡೆಯಲಿಲ್ಲ.

೮ ನಾವು ಹಣಕೊಡದೆ ಯಾರ ಬಳಿಯಲ್ಲಿಯೂ ಊಟ ಮಾಡಲಿಲ್ಲ. ನಿಮ್ಮಲ್ಲಿ ಒಬ್ಬರಿಗೂ
ಭಾರವಾಗಬಾರದೆಂದು ಹಗಲಿರುಳು ಕಷ್ಟದಿಂದಲೂ ಪ್ರಯಾಸದಿಂದಲೂ ದುಡಿದು ಜೀವನ
ಮಾಡಿದೆವು. ೯ ನಿಮ್ಮಿಂದ ಪೋಷಣೆ ಹೊಂದುವದಕ್ಕೆ ನಮಗೆ ಹಕ್ಕಿಲ್ಲವೆಂದು ಹಾಗೆ
ಮಾಡಲಿಲ್ಲ. ನೀವೂ ನಮ್ಮನ್ನು ಅನುಸರಿಸುವದಕ್ಕಾಗಿ ನಿಮಗೆ ಮಾದರಿಯಾಗಿರಬೇಕೆಂದೇ
ಮಾಡಿದೆವು. ೧೦ ಇದಲ್ಲದೆ ನಾವು ನಿಮ್ಮ ಸಂಗಡ ಇದ್ದಾಗ ಕೆಲಸ ಮಾಡಲೊಲ್ಲದವನು
ಊಟಮಾಡಬಾರದೆಂದು ನಿಮಗೆ ಆಜ್ಞಾಪಿಸಿದೆವಷ್ಟೆ ೧೧ ಆದರೆ ನಿಮ್ಮಲ್ಲಿ ಕೆಲವರು ಯಾವ
ಕೆಲಸವನ್ನೂ ಮಾಡದೆ ಇತರರ ಕೆಲಸದಲ್ಲಿ ಮಾತ್ರ ತಲೆ ಹಾಕಿ ಅಕ್ರಮವಾಗಿ ನಡೆಯುತ್ತಾರೆಂದು
ವರ್ತಮಾನ ಕೇಳಿದ್ದೇನೆ. ೧೨ ಇಂಥವರು ತಮ್ಮ ಕೆಲಸವನ್ನು ನೋಡುತ್ತಾ ತಾವೇ ಸಂಪಾದಿಸಿದ್ದನ್ನು
ಊಟಮಾಡಬೇಕೆಂದು ಕರ್ತನಾದ ಯೇಸು ಕ್ರಿಸ್ತನಲ್ಲಿ ನಾವು ಆಜ್ಞಾಪಿಸಿ ಪ್ರಭೋಧಿಸುತ್ತೇವೆ.
೧೩ ಸಹೋದರರೇ,ನೀವಾದರೋ ಒಳ್ಳೇದನ್ನು ಮಾಡುವದರಲ್ಲಿ ಬೇಸರಗೊಳ್ಳಬೇಡಿರಿ. ೧೪ ಈ
ಪತ್ರಿಕೆಯ ಮೂಲಕವಾಗಿ ಹೇಳಿರುವ ನಮ್ಮ ಮಾತಿಗೆ ಯಾವನಾದರೂ ಒಳಗಾಗದಿದ್ದರೆ ಅವನನ್ನು
ಗುರುತು ಇಟ್ಟುಕೊಂಡು ಅವನಿಗೆ ನಾಚಿಕೆಯಾಗುವಂತೆ ಅವನ ಸಹವಾಸದಲ್ಲಿ ಸೇರಬೇಡಿರಿ.
೧೫ ಆದರೂ ಅವನನ್ನು ವೈರಿಯೆಂದು ಎಣಿಸೋಎ ಸಹೋದರವೆಂದು ಎಣಿಸಿಕೊಂಡುಬುದ್ಧಿ
ಹೇಳಿರಿ.

## ಸಮಾಪ್ತಿ ವಾಕ್ಯಗಳು

೧೬ ಶಾಂತಿದಾಯಕವಾದ ಕರ್ತನು ತಾನೇ ಸದಾಕಾಲದಲ್ಲಿಯೂ ಸಕಲವಿಧದಲ್ಲಿಯೂ ನಿಮಗೆ
ಶಾಂತಿಯನ್ನು ದಯಪಾಲಿಸಲಿ. ಕರ್ತನು ನಿಮ್ಮೆಲ್ಲರೊಂದಿಗಿರಲಿ.
೧೭ ಪೌಲವೆಂಬ ನಾನು ಸ್ವಂತ ಕೈಯಿಂದವಂದನೆಯನ್ನು ಬರೆದಿದ್ದೇನೆ. ಎಲ್ಲಾ ಪತ್ರಿಕೆಗಳಲ್ಲಿಯೂ
ಇದೇ ಗುರುತು. ಹೀಗೆಯೇ ನನ್ನ ಕೈ ಬರಹ.
೧೮ ನಮ್ಮ ಕರ್ತವಾದ ಯೇಸು ಕ್ರಿಸ್ತನ ಕೃಪೆಯು ನಿಮ್ಮೆಲ್ಲರ ಸಂಗಡವಿರಲಿ

# ಪೌಲನು ತಿಮೊಥೆಯನಿಗೆ ಬರೆದ ಮೊದಲನೆಯ ಪತ್ರಿಕೆ

೧ ೧ ನಮ್ಮ ರಕ್ಷಕನಾದ ದೇವರಿಂದಲೂ ನಮ್ಮ ನಿರೀಕ್ಷೆಗೆ ಆಧಾರನಾಗಿರುವ ಕ್ರಿಸ್ತ
ಯೇಸುವಿನಿಂದಲೂ ನೇಮಿಸಲ್ಪಟ್ಟ ಕ್ರಿಸ್ತ ಯೇಸುವಿನ ಅಪೊಸ್ತಲನಾದ
ಪೌಲನು ೨ ನಂಬಿಕೆಯ ವಿಷಯದಲ್ಲಿ ನಿಜಕುಮಾರನಾಗಿರುವ ತಿಮೊಥೆಯನಿಗೆ
ಬರೆಯುವದೇನಂದರೆ— ತಂದೆಯಾದ ದೇವರಿಂದಲೂ ನಮ್ಮ ಕರ್ತನಾದ ಕ್ರಿಸ್ತ
ಯೇಸುವಿನಿಂದಲೂ ನಿನಗೆ ಕೃಪೆಯೂ ಕರುಣೆಯೂ ಶಾಂತಿಯೂ ಆಗಲಿ.

### ತಿಮೊಥೆಯನು ಎಫೆಸದಲ್ಲಿದ್ದು ಕೊಂಡು ಸುಳ್ಳುಬೋಧಕರನ್ನು ಎದುರಿಸಿ ಸ್ವಸ್ಥ ಬೋಧೆಯನ್ನು ಸ್ಥಾಪಿಸಬೇಕೆಂದು ಆಜ್ಞಾಪನೆ

೩ ನಾನು ಮಕೆದೋನ್ಯಕ್ಕೆ ಹೋಗುತ್ತಿದ್ದಾಗ ನೀನು ಎಫೆಸದಲ್ಲೇ ಇದ್ದುಕೊಂಡು ಅಲ್ಲಿರುವ
ಕೆಲವರಿಗೆ— ನೀವು ಬೇರೆ ಉಪದೇಶವನ್ನು ಮಾಡಬಾರದೆಂತಲೂ ೪ ಕಲ್ಪನಾಕಥೆಗಳಿಗೂ
ಕೊನೆಮೊದಲಿಲ್ಲದ ವಂಶಾವಳಿಗಳಿಗೂ ಲಕ್ಷ್ಯಕೊಡಬಾರದೆಂತಲೂ ಆಜ್ಞಾಪಿಸಬೇಕೆಂಬದಾಗಿ
ನಿನಗೆ ಖಂಡಿತವಾಗಿ ಹೇಳಿದ ಪ್ರಕಾರ ಈಗಲು ಹೇಳುತ್ತೇನೆ. ಅಂಥ ಕಥೆಗಳೂ ವಂಶಾವಳಿಗಳೂ
ವಿವಾದಕ್ಕೆ ಆಸ್ಪದವಾಗಿವೆಯೇ ಹೊರತು ದೇವರು ನಿರ್ವಹಿಸುವ ಕೆಲಸಕ್ಕೆ ಅನುಕೂಲವಾಗಿಲ್ಲ;
ಇದರಲ್ಲಿ ನಂಬಿಕೆಯೇ ಮುಖ್ಯವಾದದ್ದು. ೫ ಶುದ್ಧಹೃದಯ ಒಳ್ಳೇಮನಸ್ಸಾಕ್ಷಿ ನಿಷ್ಕಪಟವಾದ
ನಂಬಿಕೆ ಎಂಬಿವುಗಳಿಂದ ಹುಟ್ಟಿದ ಪ್ರೀತಿಯೇ ದೇವವಾಕ್ಯೋಪದೇಶದ ಗುರಿಯಾಗಿದೆ.
೬ ಕೆಲವರು ಈ ಗುರಿ ತಪ್ಪಿ ವ್ಯರ್ಥವಾದ ವಿಚಾರಗಳಿಗೆ ತಿರುಗಿಕೊಂಡಿದ್ದಾರೆ; ೭ ಅವರು
ಧರ್ಮೋಪದೇಶಕರಾಗಿರಬೇಕೆಂದಿದ್ದರೂ ತಾವು ಹೇಳುವದಾಗಲಿ ತಾವು ದೃಢವಾಗಿ ಮಾತಾಡುವ
ವಿಷಯವಾಗಲಿ ಇಂಥದೆಂದು ಬಲ್ಲೆವು; ೮-೧೦ ಆದರೆ ಅದನ್ನು ಅದರ ಉದ್ದೇಶಕ್ಕೆ ತಕ್ಕ ಹಾಗೆ
ಉಪಯೋಗಿಸಬೇಕು; ಅಂದರೆ ಅದು ಅಧರ್ಮಿಗಳು, ಅವಿಧೇಯರು, ಭಕ್ತಿಹೀನರು,
ಪಾಪಿಷ್ಠರು, ದೇವಭಕ್ತಿಯಿಲ್ಲದವರು, ಪ್ರಾಪಂಚಿಕರು, ತಂದೆತಾಯಿಗಳನ್ನು ಹೊಡೆಯುವವರು,
ನರಹತ್ಯಮಾಡುವವರು, ಜಾರರು, ಅಬದ್ಧಪ್ರಮಾಣಿಕರು, ಸ್ವಸ್ಥಬೋಧನೆಗೆ ಪ್ರತಿಕೂಲವಾಗಿ
ಬೇರೆ ಏನಾದರೂ ಅನೀತಿವಂತರಿಗಾಗಿ ನೇಮಕವಾಗಿಪೆಯೇ ಹೊರತು ನೀತಿವಂತರಿಗೆ
ನೇಮಕವಾಗಿಲ್ಲವೆಂದು ತಿಳಿದು ಉಪಯೋಗಿಸಬೇಕು. ೧೧ ಆ ಬೋಧೆ ಭಾಗ್ಯವಂತನಾದ
ದೇವರ ಮಹಿಮೆಯನ್ನು ಪ್ರದರ್ಶಿಸುವ ಸುವಾರ್ತೆಗೆ ಅನುಸಾರವಾಗಿದೆ.

೧೨-೧೩ ಈ ಸುವಾರ್ತೆಯ ಸೇವೆಯುನನಗೆ ಕೊಡಲ್ಪಟ್ಟಿತು. ನನಗೆ ಬಲವನ್ನು
ದಯಪಾಲಿಸಿದವನು ನಮ್ಮ ಕರ್ತನಾದ ಯೇಸು ಕ್ರಿಸ್ತನೇ. ಮೊದಲು ದೂಷಕನೂ ಹಿಂಸಕನೂ
ಬಲಾತ್ಕಾರಿಯೂ ಆಗಿದ್ದ ನನ್ನನ್ನು ಆತನು ನಂಬಿಗಸ್ತನೆಂದು ಎಣಿಸಿ ತನ್ನ ಸೇವೆಗೆ
ನೇಮಿಸಿಕೊಂಡದ್ದಕ್ಕಾಗಿ ನಾನು ಆತನಿಗೆ ಸ್ತೋತ್ರ ಸಲ್ಲಿಸುತ್ತೇನೆ. ನಾನು ಅವಿಶ್ವಾಸಿಯಾಗಿ
ತಿಳಿಯದೆ ಹಾಗೆ ಮಾಡಿದ್ದರಿಂದ ನನ್ನ ಮೇಲೆ ಕರುಣೆ ಉಂಟಾಯಿತು; ೧೪ ನಮ್ಮ ಕರ್ತನ
ಕೃಪೆಯು ಅತ್ಯಧಿಕವಾಗಿದ್ದು ಕ್ರಿಸ್ತ ಯೇಸುವಿನಲ್ಲಿರುವ ನಂಬಿಕೆಯನ್ನೂ ಪ್ರೀತಿಯನ್ನೂ
ನನ್ನಲ್ಲಿ ಉಂಟುಮಾಡಿತು. ೧೫ ಕ್ರಿಸ್ತಯೇಸು ಪಾಪಿಗಳನ್ನು ರಕ್ಷಿಸುವದಕ್ಕೋಸ್ಕರ ಈ ಲೋಕಕ್ಕೆ
ಬಂದನು ಎಂಬ ವಾಕ್ಯವು ನಂಬತಕ್ಕದ್ದಾಗಿಯೂ ಸರ್ವಾಂಗೀಕಾರಕ್ಕೆ ಯೋಗ್ಯವಾದದ್ದಾಗಿಯೂ
ಅದೆ; ಆ ಪಾಪಿಗಳಲ್ಲಿ ನಾನೇ ಮುಖ್ಯನು. ೧೬ ಆದರೆ ಇನ್ನು ಮುಂದೆ ನಿತ್ಯಜೀವಕ್ಕಾಗಿ ತನ್ನ
ಮೇಲೆ ನಂಬಿಕೆಯಿಡುವವರಿಗೆ ತನ್ನ ದೀರ್ಘಶಾಂತಿಯ ದೃಷ್ಟಾಂತವಿರಬೇಕೆಂದು ಕ್ರಿಸ್ತ
ಯೇಸು ಮುಖ್ಯಪಾಪಿಯಾದ ನನ್ನನ್ನು ಕರುಣಿಸಿ ನನ್ನಲ್ಲಿ ತನ್ನ ಪೂರ್ಣ ದೀರ್ಘಶಾಂತಿಯನ್ನು
ತೋರ್ಪಡಿಸಿದನು. ೧೭ ಸರ್ವಯುಗಗಳ ಅರಸನೂ ನಿರ್ಲಯನೂ ಅದೃಶ್ಯನೂ ಆಗಿರುವ
ಏಕದೇವರಿಗೆ ಯುಗಯುಗಾಂತರಗಳಲ್ಲಿಯೂ ಮಾನಪ್ರಭಾವಗಳಿರಲಿ. ಆಮೆನ್.

೧೮ ಮಗನಾದ ತಿಮೊಥೆಯನೇ, ನಿನ್ನ ವಿಷಯದಲ್ಲಿ ಮುಂಚೆ ಉಂಟಾದ ಪ್ರವಾದನೆಗಳನ್ನು
ನಾನು ನೆನಸಿ—ನೀನು ಅವುಗಳಿಂದ ಧೈರ್ಯಗೊಂಡು ಕ್ರೈಸ್ತರ ದಿವ್ಯಯುದ್ಧವನ್ನು
ನಡಿಸಬೇಕೆಂದು ನಿನಗೆ ಆಜ್ಞಾಪನೆಮಾಡುತ್ತೇನೆ. ೧೯ ನಂಬಿಕೆಯನ್ನೂ ಒಳ್ಳೇ ಮನಸ್ಸಾಕ್ಷಿಯನ್ನೂ
ಬಿಡದೆ ಹಿಡುಕೋ. ಕೆಲವರು ಮನಸ್ಸಿನ ಒಳ್ಳೇ ಸಾಕ್ಷಿಯನ್ನು ತಳ್ಳಿಬಿಟ್ಟು ಕ್ರಿಸ್ತನಂಬಿಕೆಯ
ವಿಷಯದಲ್ಲಿ ಹಡಗು ಒಡೆದು ನಷ್ಟಪಟ್ಟವರಂತೆ ಇದ್ದಾರೆ; ಹುಮೆನಾಯನೂ ಅಲೆಕ್ಸಾಂದರನೂ

ಇಂಥವರೇ; ೨೦ ಇವರು ದೇವದೂಷಣೆಮಾಡಬಾರದೆಂಬದನ್ನು ಕಲಿತುಕೊಳ್ಳುವಂತೆ ಇವರನ್ನು
ಸೈತಾನನಿಗೆ ಒಪ್ಪಿಸಿಕೊಟ್ಟೆನು.

### ಸಭೆಯವರು ಕೂಡುವಾಗ ಸರ್ವಜನಗಳಿಗಾಗಿ ಪ್ರಾರ್ಥಿಸಿ ಸ್ತ್ರೀಪುರುಷರು ಭಕ್ತಿಪೂರ್ವಕವಾಗಿ ದೇವಾರಾಧನೆಯನ್ನು ನಡಿಸಬೇಕು.

೨ ೧ ಎಲ್ಲಾದಕ್ಕಿಂತ ಮೊದಲು ಮನುಷ್ಯರೆಲ್ಲರಿಗೋಸ್ಕರ ದೇವರಿಗೆ ವಿಜ್ಞಾಪನೆಗಳನ್ನೂ
ಪ್ರಾರ್ಥನೆಗಳನ್ನೂ ಮನವೆಗಳನ್ನೂ ಕೃತಜ್ಞತಾಸ್ತುತಿಗಳನ್ನೂ ಮಾಡಬೇಕೆಂದು
ಬೋಧಿಸುತ್ತೇನೆ. ೨ ನಮಗೆ ಸುಖಸಮಾಧಾನಗಳು ಉಂಟಾಗಿ ನಾವು ಪೂರ್ಣಭಕ್ತಿಯಿಂದಲೂ
ಗೌರವದಿಂದಲೂ ಕಾಲಕ್ಷೇಪಮಾಡುವಂತೆ ಅರಸುಗಳಿಗಾಗಿಯೂ ಎಲ್ಲಾ ಅಧಿಕಾರಿಗಳಿಗಾಗಿಯೂ
ವಿಜ್ಞಾಪನೆಗಳನ್ನು ಮಾಡಬೇಕು. ೩ ಹಾಗೆ ಮಾಡುವದು ನಮ್ಮ ರಕ್ಷಕನಾದ ದೇವರ ಸನ್ನಿಧಿಯಲ್ಲಿ
ಮೆಚ್ಚಿಕೆಯಾಗಿಯೂ ಯೋಗ್ಯವಾಗಿಯೂ ಅದೆ. ೪ ಎಲ್ಲಾ ಮನುಷ್ಯರು ರಕ್ಷಣೆಯನ್ನು
ಹೊಂದಿ ಸತ್ಯದ ಜ್ಞಾನಕ್ಕೆ ಸೇರಬೇಕೆಂಬದು ಆತನ ಚಿತ್ತವಾಗಿದೆ. ೫ ಏಕಂದರೆ ದೇವರು
ಒಬ್ಬನೇ; ದೇವರಿಗೂ ಮನುಷ್ಯರಿಗೂ ಮಧ್ಯಸ್ಥನು ಒಬ್ಬನೇ; ಆತನು ಮನುಷ್ಯನಾಗಿರುವ ಕ್ರಿಸ್ತ
ಯೇಸುವೇ; ೬ ಆತನು ಎಲ್ಲರ ವಿಮೋಚನಾರ್ಥವಾಗಿ ತನ್ನನ್ನು ಒಪ್ಪಿಸಿಬಿಟ್ಟನು. ಇದೇ ತಕ್ಕ
ಸಮಯಗಳಲ್ಲಿ ಹೇಳಬೇಕಾದ ಸಾಕ್ಷಿಯು. ೭ ಆ ಸಾಕ್ಷಿಯನ್ನು ಪ್ರಸಿದ್ಧಿಪಡಿಸುವದಕ್ಕಾಗಿಯೇ
ನಾನು ಸಾರುವವನಾಗಿಯೂ ಅಪೊಸ್ತಲನಾಗಿಯೂ ನಂಬಿಕೆಯಿಂದಲೂ ಸತ್ಯದಿಂದಲೂ
ಅನ್ಯಜನರಿಗೆ ಬೋಧಿಸುವವನಾಗಿಯೂ ನೇಮಿಸಲ್ಪಟ್ಟೆನು. ನಾನು ಇಂಥವನೆಂಬದು ಸುಳ್ಳಲ್ಲ,
ಸತ್ಯವೇ.
೮ ಹೀಗಿರಲಾಗಿ ಪುರುಷರು ಎಲ್ಲಾ ಸ್ಥಳಗಳಲ್ಲಿ ಕೋಪವೂ ವಾಗ್ವಾದವೂ ಇಲ್ಲದವರಾಗಿ
ಭಕ್ತಿಪೂರ್ವಕವಾಗಿಯೇ ಕೈಗಳನ್ನೆತ್ತಿ ಪ್ರಾರ್ಥಿಸಬೇಕೆಂದು ಅಪೇಕ್ಷಿಸುತ್ತೇನೆ. ೯ ಹಾಗೆಯೇ
ಸ್ತ್ರೀಯರು ಮಾನಸ್ಥೆಯರಾಗಿಯೂ ಡಂಭವಿಲ್ಲದವರಾಗಿಯೂ ಇದ್ದು ಮರ್ಯಾದೆಗೆ ತಕ್ಕ
ಉಡುಪನ್ನುಟ್ಟುಕೊಳ್ಳಬೇಕೆಂದು ಅಪೇಕ್ಷಿಸುತ್ತೇನೆ. ೧೦ ಅವರು ಜಡೆ ಚಿನ್ನ ಮುತ್ತು ಬೆಲೆಯುಳ್ಳ
ವಸ್ತ್ರ ಮುಂತಾದವುಗಳಿಂದ ತಮ್ಮನ್ನು ಅಲಂಕರಿಸಿಕೊಳ್ಳದೆ ದೇವಭಕ್ತೆಯರೆನಿಸಿಕೊಳ್ಳುವ
ಸ್ತ್ರೀಯರಿಗೆ ಯುಕ್ತವಾಗಿರುವ ಪ್ರಕಾರ ಸತ್ಕ್ರಿಯೆಗಳಿಂದಲೇ ಅಲಂಕರಿಸಿಕೊಳ್ಳಬೇಕು.ರ
೧೧ ಸ್ತ್ರೀಯರು ಮೌನವಾಗಿದ್ದು ಪೂರ್ಣವಿಧೇಯರಾಗಿ ಉಪದೇಶವನ್ನು ಕೇಳಬೇಕು.
೧೨ ಉಪದೇಶಮಾಡುವದಕ್ಕಾಗಲಿ ಪುರುಷರ ಮೇಲೆ ಅಧಿಕಾರ ನಡಿಸುವದಕ್ಕಾಗಲಿ ಸ್ತ್ರೀಯರಿಗೆ
ನಾನು ಅಪ್ಪಣೆ ಕೊಡುವದಿಲ್ಲ; ೧೩ ಅವರು ಮೌನವಾಗಿರಬೇಕು. ಮೊದಲು ನಿರ್ಮಿತನಾದವನು
ಆದಾಮನಲ್ಲವೇ, ಆ ಮೇಲೆ ಹವ್ವಳು; ೧೪ ಇದಲ್ಲದೆ ಆದಾಮನು ವಂಚನೆಗೆ ಒಳಬೀಳಲಿಲ್ಲ,
ಸ್ತ್ರೀಯು ವಂಚನೆಗೆ ಒಳಬಿದ್ದು ಅಪರಾಧಿಯಾದಳು. ೧೫ ಆದರೂ ಸ್ತ್ರೀಯರು ಮಾನಸ್ಥೆಯರಾಗಿ
ನಂಬಿಕೆಯಲ್ಲಿಯೂ ಪ್ರೀತಿಯಲ್ಲಿಯೂ ಪರಿಶುದ್ಧತೆಯಲ್ಲಿಯೂ ನೆಲೆಗೊಂಡಿದ್ದರೆ ಮಕ್ಕಳನ್ನು
ಹೆರುವದರಲ್ಲಿ ರಕ್ಷಣೆಹೊಂದುವರು.

### ಸಭಾಧ್ಯಕ್ಷರೂ ಸಭಾಸೇವಕರೂ ಯೋಗ್ಯರಾಗಿರಬೇಕು.

೩ ೧ ಸಭಾಧ್ಯಕ್ಷನ ಉದ್ಯೋಗವನ್ನು ಪಡಕೊಳ್ಳಬೇಕೆಂದಿರುವವನು ಒಳ್ಳೇ ಕೆಲಸವನ್ನು
ಅಪೇಕ್ಷಿಸುವವನಾಗಿದ್ದಾನೆಂಬ ಮಾತು ನಂಬತಕ್ಕದ್ದಾಗಿದೆ. ೨ ಸಭಾಧ್ಯಕ್ಷನು
ದೋಷಾರೋಪಣೆಯಿಲ್ಲದವನೂ ಏಕಪತ್ನಿಯುಳ್ಳವನೂ ಮದ್ಯಾಸಕ್ತಿಯಿಲ್ಲದವನೂ
ಜಿತೇಂದ್ರಿಯನೂ ಮಾನಸ್ಥನೂ ಅತಿಥಿಸತ್ಕಾರಮಾಡುವವನೂ ಬೋಧಿಸುವದರಲ್ಲಿ ಪ್ರವೀಣನೂ
ಆಗಿರಬೇಕು. ೩ ಅವನು ಕುಡಿದು ಜಗಳಮಾಡುವವನೂ ಹೊಡೆದಾಡುವವನೂ ಆಗಿರಬಾರದು;
ಸಾತ್ವಿಕನೂ ಕುತರ್ಕಮಾಡದವನೂ ದ್ರವ್ಯಾಶೆಯಿಲ್ಲದವನೂ ಆಗಿರಬೇಕು; ೪ ಪೂರ್ಣಗೌರವದಿಂದ
ತನ್ನ ಮಕ್ಕಳನ್ನು ಅಧೀನದಲ್ಲಿಟ್ಟುಕೊಂಡು ಸ್ವಂತ ಮನೆಯವರನ್ನು ಚೆನ್ನಾಗಿ ಆಳುವವನಾಗಿರಬೇಕು.
೫ ಸ್ವಂತ ಮನೆಯವರನ್ನು ಆಳುವದಕ್ಕೆ ತಿಳಿಯದವನು ದೇವರ ಸಭೆಯನ್ನು ಹೇಗೆ
ಪರಾಮರಿಸುವನು? ೬ ಅವನು ಹೊಸದಾಗಿ ಸಭೆಯಲ್ಲಿ ಸೇರಿದವನಾಗಿರಬಾರದು;
ಅಂಥವನಾದರೆ ಉಬ್ಬಿಕೊಂಡು ಸೈತಾನನಿಗೆ ಪ್ರಾಪ್ತವಾದ ಶಿಕ್ಷಾವಿಧಿಗೆ ಒಳಗಾದಾನು. ೭ ಇದಲ್ಲದೆ
ಅವನು ಹೊರಗಣವರಿಂದ ಒಳ್ಳೆಯವನೆನಿಸಿಕೊಂಡಿರಬೇಕು; ಇಲ್ಲದಿದದರೆ ನಿಂದೆಗೆ
ಗುರಿಯಾಗುವನು, ಮತ್ತು ಸೈತಾನನ ಉರ್ಲಿನೊಳಗೆ ಸಿಕ್ಕಿಬಿದ್ದಾನು.

[೮] ಅದೇ ರೀತಿಯಾಗಿ ಸಭಾಸೇವಕರು ಗೌರವವುಳ್ಳವರಾಗಿರಬೇಕು. ಅವರು ಎರಡು
ಮಾತಿನವರೂ ಮಧ್ಯಸಿರತರೂ [೯] ನೀಚಲಾಭವನ್ನು ಅಪೇಕ್ಷಿಸುವವರೂ ಆಗಿರದೆ ನಂಬಿದವರಿಗೆ
ಪ್ರಕಟವಾಗಿರುವ ಸತ್ಯಾರ್ಥವನ್ನು ಶುದ್ಧಮನಸ್ಸಾಕ್ಷಿಯಿಂದ ಕೈಕೊಳ್ಳುವವರಾಗಿರಬೇಕು.
[೧೦] ಇದಲ್ಲದೆ ಅವರು ಮೊದಲು ಪರೀಕ್ಷಿಸಲ್ಪಡಬೇಕು; ತರುವಾಯ ಅವರ ಮೇಲೆ
ಯಾರೂ ತಪ್ಪುಹೊರಿಸದಿದ್ದರೆ ಸಭಾಸೇವಕರ ಉಧ್ಯೋಗವನ್ನು ನಡಿಸಲಿ. [೧೧] ಹಾಗೆಯೇ
ಸಭಾಸೇವಕಿಯರಾದ ಸ್ತ್ರೀಯರೂ ಗೌರವವುಳ್ಳವರಾಗಿರಬೇಕು; ಚಾಡಿಹೇಳುವವರಾಗಿರದೆ
ಮಧ್ಯಾಸಕ್ತಿಯಿಲ್ಲದವರಾಗಿಯೂ ಎಲ್ಲಾ ವಿಷಯಗಳಲ್ಲಿ ನಂಬಿಗಸ್ತರಾಗಿಯೂ ಇರಬೇಕು.
[೧೨] ಸಭಾಸೇವಕರು ಏಕಪತ್ನಿಯುಳ್ಳವರೂ ತಮ್ಮ ಮಕ್ಕಳನ್ನೂ ಮನೆಯವರನ್ನೂ ಚೆನ್ನಾಗಿ
ಆಳುವವರೂ ಆಗಿರಬೇಕು. [೧೩] ಸಭಾಸೇವಕರಾಗಿ ಚೆನ್ನಾಗಿ ಕೆಲಸ ಮಾಡಿದವರು ತಮಗೆ ಒಳ್ಳೇ
ಪದವಿಯನ್ನೂ ಕ್ರಿಸ್ತಯೇಸುವಿನಲ್ಲಿರುವ ನಂಬಿಕೆಯ ಸಂಬಂಧವಾಗಿ ಬಹುಧೈರ್ಯವನ್ನೂ
ಸಂಪಾದಿಸಿಕೊಳ್ಳುತ್ತಾರೆ.
[೧೪] ಬೇಗನೆ ನಿನ್ನ ಬಳಿಗೆ ಬರುವೆನೆಂದು ನನಗೆ ನಿರೀಕ್ಷೆಯುಂಟು; [೧೫] ಆದರೆ ಒಂದು ವೇಳೆ
ನಾನು ತಡಮಾಡಿದರೂ ದೇವರ ಮನೆಯಲ್ಲಿ ಅಂದರೆ ಜೀವಸ್ವರೂಪನಾದ ದೇವರ ಸಭೆಯಲ್ಲಿ
ನಡೆದುಕೊಳ್ಳಬೇಕಾದ ರೀತಿಯು ನಿನಗೆ ಗೊತ್ತಾಗಬೇಕೆಂದು ಈ ಸಂಗತಿಗಳನ್ನು ಬರೆದಿದ್ದೇನೆ.
ಆ ಸಭೆಯು ಸತ್ಯಕ್ಕೆ ಸ್ತಂಭವೂ ಆಧಾರವೂ ಆಗಿದೆ.

### ಸದ್ಧರ್ಮವನ್ನು ಕೆಡಿಸುವವರು ಬರುತ್ತಾರಾದದರಿಂದ ತಿಮೊಥೆಯನು ಎಚ್ಚರಿಕೆಯಾಗಿದ್ದು ಸದ್ಭಕ್ತನಾಗುವದಕ್ಕಾಗಿ ಬಹು ಪ್ರಯಾಸಪಡಬೇಕೆಂದು ಬೋಧೆ.

[೧೬] ದೇವಭಕ್ತಿಗೆ ಆಧಾರವಾಗಿರುವ ಸತ್ಯಾರ್ಥವು ಗಂಭೀರವಾದದ್ದೆಂಬದಕ್ಕೆ ನಾವೆಲ್ಲರೂ
ಒಪ್ಪಿಕೊಳ್ಳುತ್ತೇವೆ; ಅದೇನಂದರೆ—
ಕ್ರಿಸ್ತನು ಶರೀರಧಾರಿಯಾಗಿ ಪ್ರತ್ಯಕ್ಷನಾದನು;
ಆತ್ಮಸಂಬಂಧವಾಗಿ ಕ್ರಿಸ್ತನೇ ಎಂದು ಸ್ಥಾಪಿಸಲ್ಪಟ್ಟನು;
ದೇವದೂತರಿಗೆ ಕಾಣಿಸಿಕೊಂಡನು;
ಅನ್ಯಜನರಲ್ಲಿ ಪ್ರಸಿದ್ಧಿಮಾಡಲ್ಪಟ್ಟನು;
ಲೋಕದಲ್ಲಿ ನಂಬಲ್ಪಟ್ಟನು;
ಪ್ರಭಾವಸ್ಥಾನದಲ್ಲಿ ಸೇರಿಸಲ್ಪಟ್ಟನು.

೪ [೧] ಆದರೂ ಮುಂದಣ ದಿನಗಳಲ್ಲಿ ಕೆಲವರು ವಂಚಿಸುವ ಆತ್ಮಗಳ ನುಡಿಗಳಿಗೂ
ದೆವ್ವಗಳ ಬೋಧನೆಗಳಿಗೂ ಲಕ್ಷ್ಯಕೊಟ್ಟು ಕ್ರಿಸ್ತನಂಬಿಕೆಯಿಂದ ಭ್ರಷ್ಟರಾಗುವರೆಂದು
ದೇವರಾತ್ಮನು ಸ್ಪಷ್ಟವಾಗಿ ಹೇಳುತ್ತಾನೆ. [೨] ಸುಳ್ಳುಬೋಧಕರು ಬಂದು ಸ್ವಂತ ಮನಸ್ಸಿನಲ್ಲಿ
ಅಪರಾಧಿಗಳೆಂಬ ಬರೆಯುಳ್ಳವರಾದರೂ ತಾವು ನೀತಿವಂತರೆಂದು ತೋರ್ಪಡಿಸಿಕೊಂಡು
[೩] ಅವರನ್ನು ಮರುಳುಗೊಳಿಸಿ ಮದುವೆಯಾಗಬಾರದೆಂತಲೂ ಇಂಥಿಂಥ ಆಹಾರವನ್ನು
ತಿನ್ನಬಾರದೆಂತಲೂ ಹೇಳುವರು. ಆದರೆ ಯಾರು ನಂಬುವವರಾಗಿದ್ದು ಸತ್ಯವನ್ನು ಗ್ರಹಿಸಿದ್ದಾರೋ
ಅವರು ಕೃತಜ್ಞತಾಸ್ತುತಿಮಾಡಿ ತಿನ್ನುವದಕ್ಕೋಸ್ಕರ ದೇವರು ಸಕಲವಿಧವಾದ ಆಹಾರವನ್ನೂ
ಉಂಟುಮಾಡಿದನು. [೪] ಆತನು ಉಂಟುಮಾಡಿದ್ದೆಲ್ಲವೂ ಒಳ್ಳೇದೇ; ದೇವರ ಸ್ತೋತ್ರಮಾಡಿ
ತೆಗೆದು ಕೊಳ್ಳೂವ ಪಕ್ಷಕ್ಕೆ ಯಾವದನ್ನೂ ನಿಷಿದ್ಧವೆಂದು ಹೇಳತಕ್ಕದ್ದಲ್ಲ; [೫] ದೇವರ ವಾಕ್ಯವನ್ನು
ಹೇಳಿ ಪ್ರಾರ್ಥಿಸುವದರಿಂದ ಅದು ಪವಿತ್ರವಾಗುತ್ತದಲ್ಲಾ.
[೬] ಈ ಸಂಗತಿಗಳನ್ನು ಸಹೋದರರಿಗೆ ತಿಳಿಸಿದರೆ ನೀನು ಅನುಸರಿಸಿರುವ ಕ್ರಿಸ್ತ ನಂಬಿಕೆಯ
ಮತ್ತು ಸುಬೋಧನೆಯ ವಾಕ್ಯಗಳಲ್ಲಿ ಅಭ್ಯಾಸಹೊಂದುವವನಾಗಿ ಕ್ರಿಸ್ತ ಯೇಸುವಿನ ಒಳ್ಳೇ
ಸೇವಕನಾಗಿರುವಿ. [೭] ಅಜ್ಜೀ ಕಥೆಗಳಂತಿರುವ ಕೇವಲ ಪ್ರಾಪಂಚಿಕವಾದ ಆ ಕಥೆಗಳನ್ನು
ತಳ್ಳಿಬಿಟ್ಟು ನೀನು ದೇವಭಕ್ತಿಯ ವಿಷಯದಲ್ಲಿ ಸಾಧನೆಮಾಡಿಕೋ. [೮] ದೇಹಸಾಧನೆಯು
ಸ್ವಲ್ಪಮಟ್ಟಿಗೆ ಪ್ರಯೋಜನವಾಗಿದೆ, ಭಕ್ತಿಯಾದರೋ ಎಲ್ಲಾ ವಿಧದಲ್ಲಿ ಪ್ರಯೋಜನವಾದದ್ದು;
ಅದಕ್ಕೆ ಇಹಪರಗಳಲ್ಲಿಯೂ ಜೀವವಾಗ್ದಾನ ಉಂಟು. [೯] ಈ ವಾಕ್ಯವು ನಂಬತಕ್ಕದ್ದಾಗಿಯೂ
ಸರ್ವಾಂಗೀಕಾರಕ್ಕೆ ಯೋಗ್ಯವಾದದ್ದಾಗಿಯೂ ಅದೆ. [೧೦] ಇದಕ್ಕಾಗಿ ನಾವು ಕಷ್ಟಪಡುತ್ತೇವೆ,
ಹೋರಾಡುತ್ತೇವೆ, ಯಾಕಂದರೆ ಎಲ್ಲಾ ಮನುಷ್ಯರಿಗೂ, ವಿಶೇಷವಾಗಿ ನಂಬುವವರಿಗೆ,
ರಕ್ಷಕನಾಗಿರುವ ಜೀವವುಳ್ಳ ದೇವರ ಮೇಲೆ ನಾವು ನಿರೀಕ್ಷೆಯನ್ನಿಟ್ಟುಕೊಂಡಿದ್ದೇವೆ.

೧೧ ಈ ಸಂಗತಿಗಳನ್ನು ಆಜ್ಞಾಪಿಸಬೇಕು ಮತ್ತು ಬೋಧಿಸಬೇಕು. ೧೨ ಯೌವನಸ್ಥನೆಂದು
ನಿನ್ನನ್ನು ಅಸಡ್ಡೆಮಾಡುವದಕ್ಕೆ ಯಾರಿಗೂ ಅವಕಾಶಕೊಡದೆ ನಂಬುವವರಿಗೆ ನಡೆ ನುಡಿ
ಪ್ರೀತಿ ನಂಬಿಕೆ ಶುದ್ಧತ್ವ ಇವುಗಳ ವಿಷಯದಲ್ಲಿ ನೀನೇ ಮಾದರಿಯಾಗಿರು. ೧೩ ನಾನು ಬರುವ
ತನಕ ವೇದಪಾರಾಯಣವನ್ನೂ ಪ್ರಸಂಗವನ್ನೂ ಉಪದೇಶವನ್ನೂ ಮಾಡುವದರಲ್ಲಿ ಆಸಕ್ತನಾಗಿರು.
೧೪ ನಿನ್ನಲ್ಲಿರುವ ವರವನ್ನು ಅಲಕ್ಷ್ಯಮಾಡಬೇಡ; ಸಭೆಯ ಹಿರಿಯರು ಪ್ರವಾದನೆಯ ಸಹಿತವಾಗಿ
ನಿನ್ನ ಮೇಲೆ ಹಸ್ತಗಳನ್ನಿಟ್ಟಾಗ ಅದು ನಿನಗೆ ಕೊಡಲ್ಪಟ್ಟಿತಲ್ಲಾ. ೧೫ ಈ ಕಾರ್ಯಗಳನ್ನು
ಸಾಧಿಸಿಕೊಳ್ಳುವದರಲ್ಲಿ ಆಸಕ್ತನಾಗಿರು. ಇದರಿಂದ ನಿನ್ನ ಅಭಿವೃದ್ಧಿಯು ಎಲ್ಲರಿಗೂ
ಪ್ರಸಿದ್ಧವಾಗುವದು. ೧೬ ನಿನ್ನ ವಿಷಯದಲ್ಲಿಯೂ ನಿನ್ನ ಉಪದೇಶದ ವಿಷಯದಲ್ಲಿಯೂ
ಎಚ್ಚರಿಕೆಯಾಗಿರು. ನೀನು ಈ ಕಾರ್ಯಗಳಲ್ಲಿ ನಿರತನಾಗಿರು; ಹೀಗಿರುವದರಿಂದ ನಿನ್ನನ್ನೂ ನಿನ್ನ
ಉಪದೇಶ ಕೇಳುವವರನ್ನೂ ರಕ್ಷಿಸುವಿ.

### ತಿಮೊಥೆಯನು ಸಭೆಯವರೊಳಗೆ ಆಯಾ ತರದವರ ವಿಷಯದಲ್ಲಿ ನಡೆಯಬೇಕಾದ ರೀತಿ; ವಿಧವೆಯರ ಸಂಬಂಧವಾದ ಕ್ರಮಗಳು

೫ ೧ ವೃದ್ಧನನ್ನು ಗದರಿಸದೆ ತಂದೆಯೆಂದು ಭಾವಿಸಿ ಬುದ್ಧಿಹೇಳು. ಯೌವನಸ್ಥರನ್ನು
ಅಣ್ಣತಮ್ಮಂದಿರೆಂದೂ ವೃದ್ಧಸ್ತ್ರೀಯರನ್ನು ತಾಯಿಗಳೆಂದೂ ೨ ಯೌವನಸ್ತ್ರೀಯರನ್ನು
ಪೂರ್ಣಶುದ್ಧಭಾವದಿಂದ ಅಕ್ಕತಂಗಿಯರೆಂದೂ ಎಣಿಸಿ ಅವರವರಿಗೆ ಬುದ್ಧಿಹೇಳು.
೩-೪ ದಿಕ್ಕಿಲ್ಲದ ವಿಧವೆಯರನ್ನು ಸಂರಕ್ಷಿಸು. ಆದರೆ ಒಬ್ಬ ವಿಧವೆಗೆ ಮಕ್ಕಳಾಗಲಿ
ಮೊಮ್ಮಕ್ಕಳಾಗಲಿ ಇದ್ದರೆ ಅವರೇ ಮೊದಲು ತಮ್ಮ ಮನೆಯವರಿಗೆ ಭಕ್ತಿತೋರಿಸುವದಕ್ಕೂ
ತಂದೆತಾಯಿಗಳಿಗೆ ಪ್ರತ್ಯುಪಕಾರ ಮಾಡುವದಕ್ಕೂ ಕಲಿತುಕೊಳ್ಳಲಿ; ಇದು ದೇವರ
ದೃಷ್ಟಿಯಲ್ಲಿ ಮೆಚ್ಚಿಕೆಯಾದದ್ದು. ೫ ದಿಕ್ಕಿಲ್ಲದೆ ಒಬ್ಬೊಂಟಿಗಳಾಗಿರುವ ವಿಧವೆಯು ದೇವರ
ಮೇಲೆ ನಿರೀಕ್ಷೆಯನ್ನಿಟ್ಟು ಹಗಲಿರುಳು ವಿಜ್ಞಾಪನೆಗಳಲ್ಲಿಯೂ ಪ್ರಾರ್ಥನೆಗಳಲ್ಲಿಯೂ
ನೆಲೆಗೊಂಡಿರುವಳು. ೬ ಆದರೆ ಭೋಗಿಯಾಗಿರುವ ವಿಧವೆಯು ಬದುಕಿರುವಾಗಲೂ ಸತ್ತವಳೇ.
೭ ವಿಧವೆಯರು ನಿಂದೆಗೆ ಗುರಿಯಾಗದಂತೆ ಈ ಆಜ್ಞೆಗಳನ್ನು ಮಾಡು. ೮ ಯಾವನಾದರೂ ಸ್ವಂತ
ಜನರನ್ನು, ವಿಶೇಷವಾಗಿ ತನ್ನ ಮನೆಯವರನ್ನು ಸಂರಕ್ಷಿಸದೆಹೋದರೆ ಅವನು ಕ್ರಿಸ್ತನಂಬಿಕೆಯನ್ನು
ತಿರಸ್ಕರಿಸಿದವನೂ ನಂಬದವನಿಗಿಂತ ಕಡೆಯಾದವನೂ ಆಗಿದ್ದಾನೆ. ೯ ವಯಸ್ಸಿನಲ್ಲಿ ಅರುವತ್ತಕ್ಕೆ
ಕಡಿಮೆಯಿಲ್ಲದ ವಿಧವೆಯನ್ನು ವಿಧವೆಯರ ಪಟ್ಟಿಯಲ್ಲಿ ಸೇರಿಸಬಹುದು; ಅಂಥವಳಾದರೂ
ಒಬ್ಬ ಗಂಡನಿಗೆ ಮಾತ್ರ ಹೆಂಡತಿಯಾಗಿದ್ದವಳೂ ೧೦ ಸತ್ಕ್ರಿಯೆಗಳನ್ನು ಮಾಡುವವಳೆಂದು
ಹೆಸರುಗೊಂಡವಳೂ ಆಗಿರಬೇಕು; ಅಂದರೆ ಮಕ್ಕಳನ್ನು ಸಾಕಿದವಳಾಗಲಿ ಅತಿಥಿಸತ್ಕಾರವನ್ನು
ಮಾಡಿದವಳಾಗಲಿ ದೇವಜನರಿಗೆ ಉಪಚಾರಮಾಡಿದವಳಾಗಲಿ ಸಂಕಟದಲ್ಲಿ ಬಿದ್ದವರಿಗೆ
ಸಹಾಯಮಾಡಿದವಳಾಗಲಿ ಎಲ್ಲಾ ಸತ್ಕಾರ್ಯಗಳಲ್ಲಿ ಆಸಕ್ತಿಯುಳ್ಳವಳಾಗಲಿ ಆಗಿರಬೇಕು.
೧೧ ಪ್ರಾಯದ ವಿಧವೆಯರನ್ನು ಪಟ್ಟಿಯಲ್ಲಿ ಸೇರಿಸಬೇಡ; ಅವರು ಮದಿಸಿ ಕ್ರಿಸ್ತನಿಗೆ
ಒಳಗಾಗಲೊಲ್ಲದೆ ಮದುವೆಮಾಡಿಕೊಳ್ಳಬೇಕೆಂದು ಇಷ್ಟಪಟ್ಟಾರು. ೧೨ ಅಂಥವರು ತಾವು
ಮೊದಲು ಕೊಟ್ಟ ಭರವಸಕ್ಕೆ ತಪ್ಪಿದರೆಂಬ ಅವಮಾನಕ್ಕೊಳಗಾಗಿದ್ದಾರೆ. ೧೩ ಇದಲ್ಲದೆ ಅವರು
ಮನೆಮನೆಗೆ ತಿರುಗಾಡುತ್ತಾ ಮೈಗಳ್ಳತನವನ್ನು ಕಲಿಯುತ್ತಾರೆ; ಮೈಗಳ್ಳರಾಗುವದಲ್ಲದೆ
ಹರಟೆಮಾತಾಡುವವರೂ. ಇತರರ ಕೆಲಸದಲ್ಲಿ ಕೈಹಾಕುವವರೂ ಆಗಿ ಆಡಬಾರದ
ಮಾತುಗಳನ್ನಾಡುತ್ತಾರೆ. ೧೪ ಆದದರಿಂದ ಪ್ರಾಯದ ವಿಧವೆಯರು ಮದುವೆಮಾಡಿಕೊಂಡು
ಮಕ್ಕಳನ್ನು ಹೆತ್ತು ಮನೆಯ ಯಜಮಾನಿಯರಾಗಿರುವದು ನನಗೆ ಒಳ್ಳೇದಾಗಿ ತೋಚುತ್ತದೆ;
ಹಾಗೆ ಮಾಡುವದರಿಂದ ವಿರೋಧಿಗಳ ನಿಂದೆಗೆ ಆಸ್ಪದಕೊಂಡದೆ ಇರುವರು. ೧೫ ಇಷ್ಟರೊಳಗೆ
ಕೆಲವರು ದಾರಿಬಿಟ್ಟು ಸೈತಾನನನ್ನು ಹಿಂಬಾಲಿಸಿದ್ದಾರೆ. ೧೬ ನಂಬುವವಳಾದ ಸ್ತ್ರೀಯ ಅಧೀನದಲ್ಲಿ
ವಿಧವೆಯರಿದ್ದರೆ ಆಕೆಯೇ ಅವರನ್ನು ಸಂರಕ್ಷಿಸಲಿ. ಸಭೆಯು ದಿಕ್ಕಿಲ್ಲದ ವಿಧವೆಯರಿಗೆ
ಸಹಾಯಮಾಡಬೇಕಾಗಿರುವದರಿಂದ ಆಕೆಯು ಆ ಭಾರವನ್ನು ಅದರ ಮೇಲೆ ಹಾಕಬಾರದು.

### ಹಿರಿಯರ ವಿಶಯದಲ್ಲಿ ನಡೆಯಬೇಕಾದ ರೀತಿ.

೧೭ ಚೆನ್ನಾಗಿ ಅಧಿಕಾರ ನಡಿಸುವ ಸಭೆಯ ಹಿರಿಯರನ್ನು, ಅವರೊಳಗೆ ವಿಶೇಷವಾಗಿ
ಪ್ರಸಂಗದಲ್ಲಿಯೂ ಉಪದೇಶಲ್ಲಿಯೂ ಕಷ್ಟಪಡುವವರನ್ನು ಇಮ್ಮಡಿಯಾದ ಮಾನಕ್ಕೆ
ಯೋಗ್ಯರೆಂದು ಎಣಿಸಬೇಕು. ೧೮ ಕಣತುಳಿಯುವ ಎತ್ತಿನ ಬಾಯಿ ಕಟ್ಟಬಾರದೆಂತಲೂ

ಆಳು ತನ್ನ ಕೂಲಿಗೆ ಯೋಗ್ಯನಾಗಿದ್ದಾನೆಂತಲೂ ಶಾಸ್ತ್ರದಲ್ಲಿ ಹೇಳಿದೆಯಲ್ಲಾ. ೧೯ ಸಭೆಯ
ಹಿರಿಯನ ಮೇಲೆ ಯಾರಾದರೂ ದೂರುಹೇಳಿದರೆ ಇಬ್ಬರು ಮೂವರು ಸಾಕ್ಷಿಗಳಿದ್ದ
ಹೊರತಾಗಿ ಅದನ್ನು ಮನಸ್ಸಿಗೆ ತೆಗೆದುಕೊಳ್ಳಬೇಡ. ೨೦ ಪಾಪದಲ್ಲಿ ನಡೆಯುವವರನ್ನು ಎಲ್ಲರ
ಮುಂದೆಯೇ ಗದರಿಸು; ಇವರಿಂದ ಮಿಕ್ಕಾದವರಿಗೂ ಭಯವುಂಟಾಗುವದು. ೨೧ ನೀನು
ವಿಚಾರಿಸುವದಕ್ಕೆ ಮೊದಲೇ ತಪ್ಪುಹೊರಿಸದೆಯೂ ಪಕ್ಷಪಾತದಿಂದ ಏನೂ ಮಾಡದೆಯೂ
ನಾನು ಹೇಳಿರುವ ಮಾತುಗಳ ಪ್ರಕಾರವೇ ನಡೆಯಬೇಕೆಂದು ದೇವರ ಮುಂದೆಯೂ ಕ್ರಿಸ್ತ
ಯೇಸುವಿನ ಮುಂದೆಯೂ ಆಯಲ್ಪಟ್ಟಿರುವ ದೇವದೂತರ ಮುಂದೆಯೂ ಖಂಡಿತವಾಗಿ
ಹೇಳುತ್ತೇನೆ. ೨೨ ಅವಸರದಿಂದ ಯಾರ ತಲೆಯಮೇಲೆಯಾದರೂ ಹಸ್ತವನ್ನಿಟ್ಟು ಸಭೆಯ
ಉದ್ಯೋಗಕ್ಕೆ ನೇಮಿಸಬೇಡ. ಹಾಗೆ ನೇಮಿಸಿದರೆ ಮತ್ತೊಬ್ಬರು ಮಾಡಿದ ಪಾಪದಲ್ಲಿ ನೀನು
ಪಾಲುಗಾರನೆಂದು ತೋರಿಬಂದೀತು; ನೀನು ಶುದ್ಧನಾಗಿರುವ ಹಾಗೆ ನೋಡಿಕೋ. ೨೩ ಇನ್ನು
ಮೇಲೆ ನೀರನ್ನು ಮಾತ್ರ ಕುಡಿಯುವವನಾಗಿರದೆ ನಿನ್ನ ಅಜೀರ್ಣದ ಮತ್ತು ನಿನಗೆ ಆಗಾಗ್ಗೆ
ಉಂಟಾಗುವ ಅಸ್ವಸ್ಥತೆಯ ಪರಿಹಾರಕ್ಕಾಗಿ ದ್ರಾಕ್ಷಾರಸವನ್ನು ಸ್ವಲ್ಪವಾಗಿ ತೆಗೆದುಕೋ. ೨೪ ಕೆಲವರ
ಪಾಪಕೃತ್ಯಗಳು ಪ್ರಸಿದ್ಧವಾಗಿದ್ದು ಅವರು ಇಂಥವರೆಂದು ಮೊದಲೇ ತಿಳಿಯಪಡಿಸುತ್ತವೆ;
ಬೇರೆ ಕೆಲವರ ಪಾಪಕೃತ್ಯಗಳು ಮರೆಯಾಗಿದ್ದು ತರುವಾಯ ತಿಳಿದುಬರುತ್ತವೆ. ೨೫ ಹಾಗೆಯೇ
ಕೆಲವರ ಸತ್ಕ್ರಿಯೆಗಳು ಪ್ರಸಿದ್ಧವಾಗಿವೆ, ಬೇರೆ ಕೆಲವರ ಸತ್ಕ್ರಿಯೆಗಳು ಅಪ್ರಸಿದ್ಧವಾಗಿದ್ದರೂ
ಮರೆಯಾಗಿರಲಾರವು.

### ದಾಸರಾಗಿ ಮತ್ತೊಬ್ಬರ ಅಧೀನದಲ್ಲಿರುವ ಕ್ರೈಸ್ತರ ಧರ್ಮ.

೬ ೧ ದಾಸರಾಗಿ ಮತ್ತೊಬ್ಬರ ಅಧೀನದಲ್ಲಿರುವವರು ತಮ್ಮ ಯಜಮಾನರನ್ನು ಎಲ್ಲಾ ಮಾನಕ್ಕೂ
ಯೋಗ್ಯರೆಂದೆಣಿಸಲಿ; ಇಲ್ಲದಿದ್ದರೆ ದೇವರ ನಾಮಕ್ಕೂ ನಾವು ಹೊಂದಿರುವ
ಉಪದೇಶಕ್ಕೂ ನಿಂದೆ ಉಂಟಾದೀತು. ೨ ಯಾರಿಗಾದರೂ ಕ್ರಿಸ್ತನನ್ನು ನಂಬುವವರಾದ
ಯಜಮಾನರಿದ್ದರೆ ಅವರು ಆ ಯಜಮಾನರನ್ನು ಸಹೋದರರೆಂದು ಉದಾಸೀನಮಾಡದೆ ತಮ್ಮ
ಸೇವೆಯ ಫಲವನ್ನು ಹೊಂದುವವರು ನಂಬುವವರೂ ಪ್ರಿಯರೂ ಆಗಿದ್ದಾರೆಂದು ತಿಳಿದು
ಅವರಿಗೆ ಹೆಚ್ಚಾದ ಸಂತೋಷದಿಂದಲೇ ಸೇವೆಮಾಡಬೇಕು. ಈ ಉಪದೇಶವನ್ನು ಮಾಡಿ
ಅವರನ್ನು ಎಚ್ಚರಿಸು.

### ತಿಮೊಥೆಯನು ತಪ್ಪಾದ ಬೋಧನೆಗೂ ಹಣದಾಸೆಗೂ ದೂರವಾಗಿದ್ದು ಸದ್ಧರ್ಮವನ್ನು ಅನುಸರಿಸುವವನೂ ಬೋಧಿಸುವವನೂ ಆಗಿರಬೇಕೆಂದು ಖಂಡಿತವಾದ ಎಚ್ಚರಿಕೆಯು.

೩ ಯಾವನಾದರೂ ಬೇರೆ ವಿಧವಾದ ಉಪದೇಶವನ್ನು ಮಾಡಿ ನಮ್ಮ ಕರ್ತನಾದ ಯೇಸು
ಕ್ರಿಸ್ತನ ಸ್ವಸ್ಥವಾದ ಮಾತುಗಳಿಗೂ ಭಕ್ತ್ಯನುಸಾರವಾದ ಉಪದೇಶಕ್ಕೂ ಸಮ್ಮತಿಸದೆ ಹೋದರೆ
೪ ಅವನು ಒಂದನ್ನೂ ಮಾಡುವ ಭ್ರಾಂತಿಯಲ್ಲಿದ್ದು ಮದದಿಂದ ಕಣ್ಣುಗಾಣದವನಾಗಿದ್ದಾನೆ.
ಇವುಗಳಿಂದ ಹೊಟ್ಟೇಕಿಚ್ಚು ಜಗಳದೂಷಣೆ ದುಸ್ಸಂಶಯ ಇವುಗಳು ಉಂಟಾಗುತ್ತವೆ. ೫ ಇದಲ್ಲದೆ
ಬುದ್ಧಿಗೆಟ್ಟು ಸತ್ಯವಿಹೀನರಾಗಿದ್ದು ದೇವಭಕ್ತಿಯನ್ನು ಲಾಭಸಾಧನವೆಂದೆಣಿಸುವ ಈ
ಮನುಷ್ಯರಲ್ಲಿ ನಿತ್ಯವಾದ ಕಚ್ಚಾಟಗಳು ಉಂಟಾಗುತ್ತವೆ. ೬ ಸಂತುಷ್ಟಿಸಹಿತವಾದ ಭಕ್ತಿಯು ದೊಡ್ಡ
ಲಾಭವೇಸರಿ. ೭ ನಾವು ಲೋಕದೊಳಕ್ಕೆ ಏನೂ ತಕ್ಕೊಂಡು ಬರಲಿಲ್ಲವಷ್ಟೆ; ಅದರೊಳಗಿಂದ ಏನೂ
ತಕ್ಕೊಂಡು ಹೋಗಲಾರೆವು. ೮ ನಮಗೆ ಅನ್ನ ವಸ್ತ್ರಗಳಿದ್ದರೆ ಸಾಕು; ೯ ಐಶ್ವರ್ಯವಂತರಾಗಬೇಕೆಂದು
ಮನಸ್ಸುಮಾಡುವವರು ದುಷ್ಪ್ರೇರಣೆಯೆಂಬ ಉರ್ಲಿನಲ್ಲಿ ಸಿಕ್ಕಿಕೊಂಡು ಬುದ್ಧಿವಿರುದ್ಧವಾಗಿಯೂ
ಹಾನಿಕರವಾಗಿಯೂ ಇರುವ ಅನೇಕ ಆಶೆಗಳಲ್ಲಿ ಬೀಳುತ್ತಾರೆ. ಇಂಥ ಆಶೆಗಳ ಮನುಷ್ಯರನ್ನು
ಸಂಹಾರನಾಶನಗಳಲ್ಲಿ ಮುಳುಗಿಸುತ್ತವೆ. ೧೦ ಹಣದಾಸೆಯು ಸಕಲವಿಧವಾದ ಕೆಟ್ಟತನಕ್ಕೆ
ಮೂಲವಾಗಿದೆ. ಕೆಲವರು ಅದಕ್ಕಾಗಿ ಆತುರಪಟ್ಟು ಅದರಿಂದ ಕ್ರಿಸ್ತನಂಬಿಕೆಯನ್ನು ಬಿಟ್ಟು
ಅಲೆದಾಡಿ ಅನೇಕ ವೇದನೆಗಳಿಂದ ತಮ್ಮನ್ನು ತಿವಿಸಿಕೊಳ್ಳುತ್ತಾರೆ.
೧೧ ಎಲೈ, ದೇವರ ಮನುಷ್ಯನೇ, ನೀನಾದರೋ ಇವುಗಳಿಗೆ ದೂರವಾಗಿರು; ನೀತಿ
ಭಕ್ತಿ ನಂಬಿಕೆ ಪ್ರೀತಿ ಸ್ಥಿರಚಿತ್ತ ಸಾತ್ವಿಕತ್ವ ಇವುಗಳನ್ನು ಸಂಪಾದಿಸುವದಕ್ಕೆ ಪ್ರಯಾಸಪಡು.
೧೨ ಕ್ರಿಸ್ತನಂಬಿಕೆಯುಳ್ಳವರು ಮಾಡತಕ್ಕ ಶ್ರೇಷ್ಠ ಹೋರಾಟವನ್ನು ಮಾಡು, ನಿತ್ಯಜೀವವನ್ನು
ಹಿಡಿದುಕೋ; ಅದಕ್ಕಾಗಿ ದೇವರು ನಿನ್ನನ್ನು ಕರೆದನು, ಮತ್ತು ನೀನು ಅನೇಕಸಾಕ್ಷಿಕಳ ಮುಂದೆ
ಒಳ್ಳೇ ಪ್ರತಿಜ್ಞೆಯನ್ನು ಮಾಡಿದಿಯಲ್ಲಾ. ೧೩ ಸರ್ವ ಸೃಷ್ಟಿಗೆ ಜೀವಾಧಾರಕನಾದ ದೇವರ

ಮುಂದೆಯೂ ಪೊಂತ್ಯ ಪಿಲಾತನ ಕಾಲದಲ್ಲಿ ಶ್ರೇಷ್ಠಪ್ರತಿಜ್ಞೆಯನ್ನು ತಾನೇ ಸಾಕ್ಷಿಯಾಗಿದ್ದು
ಸ್ಥಾಪಿಸಿದ ಕ್ರಿಸ್ತ ಯೇಸುವಿನ ಮುಂದೆಯೂ ನಾನು ನಿನಗೆ ಖಂಡಿತವಾಗಿ ಹೇಳುವದೇನಂದರೆ
— [೧೪] ನಮ್ಮ ಕರ್ತನಾದ ಯೇಸು ಕ್ರಿಸ್ತನು ಪ್ರತ್ಯಕ್ಷಪಡಿಸುವ ತನಕ ನೀನು ಸುವಾರ್ತೆಯ
ವಿಧಿಯನ್ನು ನಿಷ್ಕಳಂಕವಾಗಿಯೂ ನಿಂದಾರಹಿತವಾಗಿಯೂ ಕಾಪಾಡಬೇಕು. [೧೫] ಭಾಗ್ಯವಂತನಾದ
ಏಕಾಧಿಪತಿಯು ತನ್ನ ಕ್ಲುಪ್ತ ಸಮಯದಲ್ಲೇ ಆತನನ್ನು ಪ್ರತ್ಯಕ್ಷಪಡಿಸುವನು. ಆ ಏಕಾಧಿಪತಿಯು
ರಾಜಾಧಿರಾಜನೂ ಕರ್ತನೂ [೧೬] ತಾನೊಬ್ಬನೇ ಅಮರತ್ವವುಳ್ಳವನೂ ಅಗಮ್ಯವಾದ ಬೆಳಕಿನಲ್ಲಿ
ವಾಸಮಾಡುವವನೂ ಆಗಿದ್ದಾನೆ; ಮನುಷ್ಯರಲ್ಲಿ ಯಾರೂ ಆತನನ್ನು ಕಾಣಲಿಲ್ಲ, ಯಾರೂ
ಕಾಣಲಾರರು; ಆತನಿಗೆ ಮಾನವೂ ನಿತ್ಯಾಧಿಪತ್ಯವೂ ಇರಲಿ. ಆಮೆನ್.
[೧೭] ಇಹಲೋಕವಿಷಯದಲ್ಲಿ ಐಶ್ವರ್ಯವುಳ್ಳವರು ಅಹಂಕಾರಿಗಳಾಗಿರದೆ ಅಸ್ಥಿರವಾದ
ಐಶ್ವರ್ಯದಮೇಲೆ ನಿರೀಕ್ಷೆಯನ್ನಿಡದೆ ನಮ್ಮ ಅನುಭೋಗಕ್ಕೋಸ್ಕರ ನಮಗೆ ಎಲ್ಲವನ್ನೂ
ಹೇರಳವಾಗಿ ದಯಪಾಲಿಸುವ ದೇವರ ಮೇಲೆ [೧೮-೧೯] ನಿರೀಕ್ಷೆಯನ್ನಿಡಬೇಕೆಂತಲೂ
ವಾಸ್ತವವಾದ ಜೀವವನ್ನು ಹೊಂದುವದಕ್ಕೋಸ್ಕರ ಅವರು ಒಳ್ಳೇದನ್ನು ಮಾಡುವವರೂ
ಸತ್ಕಾರ್ಯಗಳಲ್ಲಿ ಐಶ್ವರ್ಯವಂತರೂ ದಾನಧರ್ಮಗಳನ್ನು ಮಾಡುವವರೂ
ಪರೋಪಕಾರಮಾಡುವವರೂ ಆಗಿದ್ದು ಮುಂದಿನ ಕಾಲಕ್ಕೆ ಒಳ್ಳೇ ಅಸ್ತಿವಾರವಾಗುವಂಥವುಗಳನ್ನು
ತಮಗೆ ಕೂಡಿಸಿಟ್ಟುಕೊಳ್ಳಬೇಕೆಂತಲೂ ಅವರಿಗೆ ಆಜ್ಞಾಪಿಸು.
[೨೦] ಎಲೈ ತಿಮೊಥೆಯನೇ, ಜ್ಞಾನೋಪದೇಶವೆಂದು ಸುಳ್ಳಾಗಿ ಹೇಳಿಕೊಳ್ಳುವ ಬೋಧನೆಗೆ
ಸಂಬಂಧಪಟ್ಟ ಪ್ರಾಪಂಚಿಕವಾದ ಆ ಹರಟೆಮಾತುಗಳಿಗೂ ವಿವಾದಗಳಿಗೂ ನೀನು ದೂರವಾಗಿದ್ದು
ನಿನ್ನ ವಶಕ್ಕೆ ಕೊಟ್ಟಿರುವದನ್ನೇ ಕಾದಾಡು. [೨೧] ಕೆಲವರು ಆ ಸುಳ್ಳಾದ ಜ್ಞಾನವನ್ನು ಅವಲಂಬಿಸಿ
ಕ್ರಿಸ್ತನಂಬಿಕೆಯಿಂದ ಭ್ರಷ್ಟರಾದರು. ಕೃಪೆಯು ನಿಮ್ಮೊಂದಿಗಿರಲಿ.

# ಪೌಲನು ತಿಮೊಥೆಯನಿಗೆ ಬರೆದ ಎರಡನೇ ಪತ್ರಿಕೆ.

ಪೌಲನು ತಿಮೊಥೆಯನಿಗೆ ಬರೆದ ಎರಡನೇ ಪತ್ರಿಕೆ.

ಒಕ್ಕಣೆ

೧ ೧ ಕ್ರಿಸ್ತಯೇಸುವಿನಲ್ಲಿರುವ ಜೀವವಾಗ್ದಾನವನ್ನು ತಿಳಿಯಪಡಿಸುವದಕ್ಕೋಸ್ಕರ ದೇವರ
ಚಿತ್ತಾನುಸಾರವಾಗಿ ಕ್ರಿಸ್ತಯೇಸುವಿನ ಅಪೊಸ್ತಲನಾದ ಪೌಲನು, ೨ ತನ್ನ ಪ್ರೀಯ
ಕುಮಾರನಾದ ತಿಮೊಥೆಯನಿಗೆ ಬರೆಯುವದೇನಂದರೆ – ತಂದೆಯಾದ ದೇವರಿಂದಲೂ ನಮ್ಮ
ಕರ್ತನಾದ ಯೇಸುವಿನಿಂದಲೂ ಕೃಪೆಯು ಕರುಣೆಯೂ ಶಾಂತಿಯೂ ಆಗಲಿ.

ತಿಮೊಥೆಯನು ಸುವಾರ್ತಾ ಸೇವೆಯಲ್ಲಿ ನಂಬಿಗಸ್ತವಾಗಿರಬೇಕೆಂದು ಬೋಧನೆ.

೩ ನಾನು ಹಗಲಿರುಳು ನನ್ನ ಪ್ರಾರ್ಥನೆಗಳಲ್ಲಿ ನಿನ್ನನ್ನು ತಪ್ಪದೆ ಜ್ಞಾಪಿಸಿಕೊಳ್ಳುತ್ತೇನೆ.
ಇದಲ್ಲದೆ ನಾನು ಪೂರ್ವಿಕರ ಭಕ್ತಿಮಾರಚಗವನ್ನೇ ಅನುಸರಿಸಿ ಒಳ್ಳೇ ಮನಸಾಕ್ಷಿಯುಳ್ಳವನಾಗಿ
ಆರಾಧಿಸುವ ದೇವರಿಗೆ ನಿನ್ನ ವಿಷಯವಾಗಿ ಸ್ತೋತ್ರಸಲ್ಲಿಸುತ್ತೇನೆ. ೪ ನಾನು ನಿನ್ನ
ಕಣ್ಣೀರುಗಳನ್ನು ನೆನಪಿಗೆ ತ್ದು ನಿನ್ನನ್ನು ನೋಡಿ ಸಂತೋಷಭರಿತನಾಗಬೇಕೆಂದು
ಅಪೇಕ್ಷಿಸುತ್ತೇನೆ. ೫ ನಿನ್ನಲ್ಲಿರುವ ನಿಷ್ಕಪಟವಾದ ನಂಬಿಕೆಯು ನನ್ನ ನೆನಪಿಗೆ ಬಂತು. ಆ
ನಂಬಿಕೆಯು ನಿನ್ನ ಅಜ್ಜಿಯಾದ ಲೋವಿಯಲ್ಲಿಯೂ ನಿನ್ನ ತಾಯಿಯಾದ ಯೂನೀಕೆಯಲ್ಲಿಯೂ
ವಾಸವಾಗಿತ್ತು. ಹಾಗೆ ನಿನ್ನಲ್ಲಿಯೂ ವಾಸವಾಗಿದೆ ಎಂದು ದೃಡವಾಗಿ ನಂಬಿದ್ದೇವೆ.
೬ ಆದಕಾರಣ ನಾನು ನಿನ್ನ ತಲೆಯ ಮೇಲೆ ಹಸ್ತವನ್ನಿಟ್ಟದರ ಮೂಲಕ ನಿನಗೆ ದೊರಕಿದ
ದೇವರ ಕೃಪಾವರವು ಪ್ರಜ್ವಲಿಸುವಂತೆ ಮಾಡಬೇಕೆಂದು ನಿನಗೆ ಜ್ಞಾಪಕಕೊಡುತ್ತೇನೆ.
೭ ದೇವರು ನಮಗೆ ಕೊಟ್ಟಿರುವ ಆತ್ಮವು ಬಲ ಪ್ರೀತಿ ಶಿಕ್ಷಣಗಳ ಆತ್ಮವೇ ಹೊರತು
ಹೇಡಿತನದ ಆತ್ಮವಲ್ಲ. ೮ ಆದದರಿಂದ ನೀನು ನಮ್ಮ ಕರ್ತನನ್ನು ಕುರಿತು ಹೇಳುವ ಸಾಕ್ಷಿಯ
ವಿಷಯದಲ್ಲಾಗಲಿ ಆತವ ಸೆರೆಯವನಾದ ನನ್ನ ವಿಷಯದಲ್ಲಾಗಲಿ ನಾಚಿಕೆ ಪಡದೆ
ದೇವರ ಬಲವನ್ನು ಆಶ್ರಯಿಸಿ ನನ್ನೊಂದಿಗೆ ಸುವಾರ್ತೆಗೋಸ್ಕರ ಶ್ರಮೆಯನ್ನನುಭವಿಸು.
೯ ಆತನು ನಮ್ಮಲ್ಲಿ ಸುಕೃತ್ಯಗಳನ್ನು ನೋಡಿದ್ದರಿಂದಲ್ಲ. ತನ್ನ ಸಂಕಲ್ಪವನ್ನು ಅನುಸರಿಸಿ
ಕೃಪೆಯಿಂದಲೇ ನಮ್ಮನ್ನು ರಕ್ಷಿಸಿ ಪರಿಶುದ್ಧರಾಗುವದಕ್ಕೆ ಕರೆದನು. ೧೦ ಆತನು ಅನಾಧಿಕಾಲದಲ್ಲಿ
ಆ ಕೃಪೆಯನ್ನು ಕ್ರಿಸ್ತ ಯೇಸುವಿನಲ್ಲಿ ನಮಗೆ ಅನುಗ್ರಹಿಸಿ ಈಗ ನಮ್ಮ ರಕ್ಷಕನಾದ ಕ್ರಿಸ್ತ
ಯೇಸುವಿನ ಪ್ರತ್ಯಕ್ಷತೆಯ ಮೂಲಕ ಅದನ್ನು ಪ್ರಕಾಶಪಡಿಸಿದ್ದಾನೆ. ಈತನು ಮರಣವನ್ನು
ನಿವೃತ್ತಿ ಮಾಡಿ ಸುವಾರ್ತೆಯ ಮೂಲಕ ಜೀವವನ್ನೂ ನಿರ್ಲಯತ್ವವನ್ನೂ ಪ್ರಕಾಶಗೊಳಿಸಿದನು.
೧೧ ಆ ಸುವಾರ್ತಾಭಿವೃದ್ಧಿಗೋಸ್ಕರ ನಾನು ಸಾರುವವನಾಗಿಯೂ ಅಪೊಸ್ತಲನಾಗಿಯೂ
ಉಪದೇಶಕನಾಗಿಯೂ ನೇಮಿಸಲ್ಪಟ್ಟೆನು. ೧೨ ಇದರ ನಿಮಿತ್ತದಿಂದಲೇ ಈ ಶ್ರಮೆಗಳನ್ನು
ಅನುಭವಿಸುತ್ತಾ ಇದ್ದೇನೆ. ಆದರೂ ನಾನು ನಾಚಿಕೆಪಡುವದಿಲ್ಲ. ನಾನು ನಂಬಿರುವಾತನನ್ನು
ಬಲ್ಲೆನು. ಆತನು ನನ್ನ ವಶದಲ್ಲಿಟ್ಟಿರುವದನ್ನು ಆತನು ಆ ದಿನಕ್ಕಾಗಿ ಕಾಪಾಡುವದಕ್ಕೆ
ಶಕ್ತವಾಗಿದ್ದಾನೆಂದು ದೃಡವಾಗಿ ನಂಬಿದ್ದೇನೆ. ೧೩ ನೀನು ಕ್ರಿಸ್ತ ಯೇಸುವಿನಲ್ಲಿ ನಂಬಿಕೆಯೂ
ಪ್ರೀತಿಯೂ ಉಳ್ಳವನಾಗಿ ನನ್ನಿಂದ ಕೇಳಿದ ಸ್ವಸ್ಥಬೋಧನಾವಾಕ್ಯಗಳನ್ನು ಮಾದರಿಮಾಡಿಕೊಂಡು
ಅನುಸರಿಸು. ೧೪ ನಿನ್ನ ವಶಕ್ಕೆ ಕೊಡಲ್ಪಟ್ಟಿರುವದನ್ನು ಶ್ರೇಷ್ಠವೆಂದು ತಿಳಿದು ನಮ್ಮಲ್ಲಿ
ವಾಸವಾಗಿರುವ ಪವಿತ್ರಾತ್ಮನ ಮೂಲಕ ಕಾಪಾಡು. ೧೫ ಆಸ್ಯಸೀಮೆಯಲ್ಲಿರುವವರೆಲ್ಲರೂ
ನನ್ನನ್ನು ಕೈಬಿಟ್ಟರೆಂಬದನ್ನು ನೀನು ಬಲ್ಲೆ. ಅವರಲ್ಲಿ ಪುಗೇಲನೂ ಹೆಮೊರ್ಗೇನನೂ
ಸೇರಿದ್ದಾರೆ. ೧೬ ಒನೇಸಿಫೊರನ ಮನೆಯವರಿಗೆ ಕರ್ತನು ಕರುಣೆಯನ್ನು ತೋರಿಸಲಿ.
ಅವನು ಅನೇಕಾವರ್ತಿ ನನ್ನನ್ನು ಆಧರಿಸಿದನು. ೧೭ ನನ್ನ ಬೇಡಿಗಳಿಗೆ ನಾಚಿಕೆಪಡದೆ
ರೋಮಾಪುರಕ್ಕೆ ಬಂದಕೂಡಲೆ ಬಹು ವಿಚಾರಣೆಯಿಂದ ನನ್ನನ್ನು ಹುಡುಕಿ ಕಂಡುಕೊಂಡನು.
೧೮ ಅವನು ಆ ದಿನದಲ್ಲಿ ಕರ್ತನಿಂದ ಕರುಣೆಯನ್ನು ಹೊಂದುವಂತೆ ಕರ್ತನು ಅವನಿಗೆ
ದಯಪಾಲಿಸಲಿ.ಎಫೆಸದಲ್ಲಿಯೂ ಎಷ್ಟೋ ಉಪಚಾರಮಾಡಿದನೆಂಬದು ನಿನಗೆ ಚೆನ್ನಾಗಿ
ಗೊತ್ತಿದೆ.

೨ ೧ ನನ್ನ ಮಗನೇ ನೀನು ಕ್ರಿಸ್ತ ಯೇಸುವಿನಲ್ಲರುವ ಕೃಪೆಯಿಂದ ಬಲಹೊಂದಿದವನಾಗು.
೨ ನೀನು ನನ್ನಿಂದ ಅನೇಕ ಸಾಕ್ಷಿಗಳ ಮುಂದೆ ಕೇಳಿದ ಉಪದೇಶವನ್ನು ಇತರರಿಗೆ
ಬೋಧಿಸಶಕ್ತರಾದ ನಂಬಿಗಸ್ತ ಮನುಷ್ಯರಿಗೆ ಒಪ್ಪಿಸಿಕೊಡು. ೩ ಕ್ರಿಸ್ತ ಯೇಸುವಿನ ಒಳ್ಳೇ
ಸೈನಿಕನಂತೆ ನನ್ನೊಂದಿಗೆ ಶ್ರಮೆಯನ್ನನುಭವಿಸು. ೪ ಯುದ್ಧಕ್ಕೆ ಹೋಗುವ ಸೈನಿಕನು
ಲೋಕವ್ಯವಹಾರದಲ್ಲಿ ಸಿಕ್ಕಿಕೊಳ್ಳದೆ ತನ್ನನ್ನು ಸೈನ್ಯದಲ್ಲಿ ಸೇರಿಸಿಕೊಂಡವನನ್ನು
ಮೆಚ್ಚಿಸುವದಕ್ಕೆ ಪ್ರಯಾಸ ಪಡುತ್ತಿರುವನಲ್ಲವೇ. ೫ ಇದಲ್ಲದೆ ಯಾವನಾದರೂ ರಂಗಸ್ಥಳದಲ್ಲಿ
ಎದುರಾಳಿಯೊಡನೆ ಹೋರಾಡುವಾಗ ನಿಯಮದ ಪ್ರಕಾರ ಹೋರಾಡದಿದ್ದರೆ ಅವನಿಗೆ
ಜಯಮಾಲೆಯು ದೊರಕುವದಿಲ್ಲ. ೬ ವ್ಯವಸಾಯದ ಹುಟ್ಟುವಳಿಯಲ್ಲಿ ಮೊದಲನೆಯ
ಪಾಲು ಕಷ್ಟಮಾಡಿದವನಿಗೆ ದೊರೆಯುತ್ತದೆ. ೭ ನಾನು ಹೇಳುವದನ್ನು ಯೋಚಿಸು. ಕರ್ತನು
ಎಲ್ಲಾದರಲ್ಲೂ ನಿನಗೆ ವಿವೇಕವನ್ನು ದಯಪಾಲಿಸುವನು. ೮ ಸತ್ತವರೊಳಗಿಂದ ಎಬ್ಬಿಸಲ್ಪಟ್ಟವನೂ
ದಾವೀದನ ವಂಶದವನೂ ಆಗಿರುವ ಯೇಸು ಕ್ರಿಸ್ತನನ್ನು ಜ್ಞಾಪಕಮಾಡಿಕೋ ಇದೇ ನಾನು ಸಾರುವ
ಸುವಾರ್ತೆ. ೯ ಇದರಲ್ಲಿ ನಾನು ಕಷ್ಟವನ್ನನುಭವಿಸಿ ದುಷ್ಕರ್ಮಿಯಂತೆ ಸಂಕೋಲೆಯಿಂದ
ಕಟ್ಟಲ್ಪಟ್ಟವನಾಗಿದ್ದೇನೆ. . ಆದರೆ ದೇವರ ವಾಕ್ಯವು ಬಂದನವಿಲ್ಲ. ೧೦ ಆದಕಾರಣ
ದೇವರಾರಿಸಿಕೊಂಡವರು ನನ್ನ ಕೂಡ ಕ್ರಿಸ್ತ ಯೇಸುವಿನಲ್ಲಿರುವ ರಕ್ಷಣೆಯನ್ನು ನಿತ್ಯಪ್ರಭಾವ
ಸಹಿತವಾಗಿ ಹೊಂದಬೇಕೆಂದು ನಾನು ಅವರಿಗೋಸ್ಕರ ಎಲ್ಲವನ್ನು ತಾಳಿಕೊಳ್ಳುತ್ತೇನೆ. ೧೧ ಈ
ಮಾತು ನಂಬತಕ್ಕದ್ದಾಗಿದೆ. ಏನಂದರೆ ನಾವು ಆತನೊಡನೆ ಸತ್ತಿದ್ದರೆ ಆತನೊಡನೆ ಜೀವಿಸುವೆವು.
೧೨ ಸಹಿಸಿಕೊಳ್ಳುವವರಾಗಿದ್ದರೆ ಆತನೊಡನೆ ಆಳುವೆವು. ನಾವು ಯೇಸುವಿನವರಲ್ಲವೆಂದು
ಹೇಳಿದರೆ ಆತನು ನಮ್ಮನ್ನು ತನ್ನವರಲ್ಲವೆಂದು ಹೇಳುವನು. ೧೩ ನಾವು ಅಪನಂಬಿಗಸ್ತರಾಗಿದ್ದರೂ
ಆತನು ನಂಬಿಗಸ್ತನಾಗಿಯೇ ಇರುವನು. ತನ್ನ ಸ್ವಭಾವಕ್ಕೆ ವಿರುದ್ಧವಾಗಿ ಏನೂ ಮಾಡಲಾರನು.

### ದುರ್ಮಾರ್ಗತನವೂ ದುರ್ಬೋಧನೆಯೂ ಪ್ರಬಲವಾಗಿರುವದರಿಂದ ತಿಮೊಥೆಯನು ಬಹು ಎಚ್ಚರಿಕೆಯುಳ್ಳವನಾಗಿರಬೇಕೆಂದು ಬೋಧನೆ.

೧೪ ಈ ಸಂಗತಿಗಳನ್ನು ಸಭೆಯವರ ಜ್ಞಾಪಕಕ್ಕೆ ತರಬೇಕು. ಕೇಳುವವರಿಗೆ
ಕೇಡನ್ನುಂಟುಮಾಡುವದೇ ಹೊರತು ಯಾವ ಪ್ರಯೋಜನಕ್ಕೂ ಬಾರದ ವಾಗ್ವಾದಗಳನ್ನು
ಮಾಡಬಾರದೆಂದು ಅವರಿಗೆ ದೇವರ ಸನ್ನಿಧಿಯಲ್ಲಿ ಖಂಡಿತವಾಗಿ ಹೇಳು. ೧೫ ನೀನು ದೇವರ
ದೃಷ್ಟಿಗೆ ಯೋಗ್ಯವಾಗಿ ಕಾಣಿಸಿಕೊಳ್ಳುವದಕ್ಕೆ ಪ್ರಯಾಸಪಡು. ಅವಮಾವಕ್ಕೆ ಗುರಿಯಾಗದ
ಕೆಲಸದವನೂ ಸತ್ಯವಾಕ್ಯವನ್ನು ಸರಿಯಾಗಿ ಉಪದೇಶಿಸುವವನೂ ಆಗಿರು. ೧೬ ಪ್ರಾಪಂಚಿಕವಾದ
ಆ ಹರಟೆ ಮಾತುಗಳಿಂದ ದೂರವಾಗಿರು. ಅವುಗಳಿಗೆ ಮನಸ್ಸುಕೊಡುವವರು ಹೆಚ್ಚೆಚ್ಚಾಗಿ
ಭಕ್ತಿಹೀನರಾಗುವರು. ೧೭ ಅವರ ಮಾತು ಕೊಳಕು ಹುಣ್ಣಿನಂತೆ ಹರಡಿಕೊಳ್ಳುವದು. ಅವರಲ್ಲಿ
ಹುಮೆನಾಯನೂ ಫಿಲೇತನೂ ಇದ್ದಾರೆ. ೧೮ ಅವರು ಪುನರುತ್ಥಾನವು ಆಗಿಹೋಯಿತೆಂದು
ಹೇಳುತ್ತಾ ಸತ್ಯಭ್ರಷ್ಟರಾಗಿ ಕೆಲವರ ನಂಬಿಕೆಯನ್ನು ಕೆಡಿಸುವವರಾಗಿದ್ದಾರೆ. ೧೯ ಆದರೂ ದೇವರ
ಸ್ಥಿರವಾರವು ನಿಲ್ಲುತ್ತದೆ. ಅದರ ಮೇಲೆ ತನ್ನವರು ಯಾರೆಂಬದನ್ನು ಕರ್ತನು ತಿಳಿದಿದ್ದಾನೆಂತಲೂ
ಕರ್ತವ ನಾಮವನ್ನು ಹೇಳಿಕೊಳ್ಳುವವರೆಲ್ಲರು ದುರ್ಮಾರ್ಗತನವನ್ನು ಬಿಟ್ಟುಬಿಡಬೇಕಂತಲೂ
ಲಿಪಿಯುಂಟು ೨೦ ದೊಡ್ಡ ಮನೆಯಲ್ಲಿ ಬೆಳ್ಳಿ ಬಂಗಾರದ ಪಾತ್ರೆಗಳಲ್ಲದೆ ಮರದ ಪಾತ್ರೆಗಳೂ
ಮಣ್ಣಿನ ಪಾತ್ರೆಗಳೂ ಇರುತ್ತವೆ. ಅವುಗಳಲ್ಲಿ ಕೆಲವು ಉತ್ತಮವಾದ ಬಳಕೆಗೂ ಕೆಲವು ಹೀನವಾದ
ಬಳಕೆಗೂ ಬರುತ್ತವೆ. ೨೧ ಹೀಗಿರಲಾಗಿ ಒಬ್ಬನು ಹೀನ ನಡತೆಯುಳ್ಳವರ ಸಹವಾಸವನ್ನು
ಬಿಟ್ಟು ತನ್ನನ್ನು ಶುದ್ಧಮಾಡಿಕೊಂಡರೆ ಅವನು ಉತ್ತಮವಾದ ಬಳಕೆಗೆ ಯೋಗ್ಯನಾಗಿರುವನು.
ಅವನು ದೇವರ ಸೇವೆಗೆ ಪ್ರತಿಷ್ಠಿತನಾಗಿಯೂ ಯಜಮಾನಿಗೆ ಉಪಯುಕ್ತನಾಗಿಯೂ ಸಕಲ
ಸತ್ಕ್ರಿಯೆಗಳನ್ನು ಮಾಡುವದಕ್ಕೆ ಸಿದ್ಧನಾಗಿಯೂ ಇರುವನು.
೨೨ ನೀನು ಯೌವನದ ಇಚ್ಛೆಗಳಿಗೆ ದೂರವಾಗಿರು. ನೀತಿ ವಿಶ್ವಾಸ
ಪ್ರೀತಿಗಳನ್ನುಸಂಪಾಧಿಸುವದಕ್ಕೂ ಶುದ್ಧಹೃದಯವುಳ್ಳವರಾಗಿ ಕರ್ತನನ್ನು ಬೇಡಿಕೊಳ್ಳುವವರ
ಸಂಗಡ ಸಮಾಧಾನದಿಂದಿರುವದಕ್ಕೂ ಪ್ರಯಾಸಪಡು. ೨೩ ಮೂಢರ ಬುದ್ಧಿಯಿಲ್ಲದ ವಿಚಾರಗಳು
ಜಗಳಗಳಿಗೆ ಕಾರಣವಾಗಿವೆ ಎಂದು ತಿಳಿದು ಅಬುಗಳ ಗೊಡವೆಗೆ ಹೋಗಬೇಡ. ೨೪ ಕರ್ತನ
ದಾಸನು ಜಗಳವಾಡದೆ ಎಲ್ಲರ ವಿಷಯದಲ್ಲಿ ಸಾಧುವೂ ಬೋಧಿಸುವದರಲ್ಲಿ ಪ್ರವೀಣನೂ ಕೇಡನ್ನು
ಸಹಿಸಿ ಕೊಳ್ಳುವವನೂ, ೨೫ ಎದುರಿಸುವವರನ್ನು ನಿಧಾನದಿಂದ ತಿದ್ದುವವನೂ ಆಗಿರಬೇಕು.
ಒಂದು ವೇಳೆ ದೇವರು ಆ ಎದುರಿಸುವವರ ಮನಸ್ಸನ್ನು ತನ್ನ ಕಡೆಗೆ ತಿರುಗಿಸಿ, ಸತ್ಯದ

ಜ್ಞಾನವನ್ನು ಅವರಿಗೆ ಕೊಟ್ಟಾನು. ೨೬ ಸೈತಾವವ ಉರುಲಿಗೆ ಬಿದ್ದವರಾದ ಇವರು ಒಂದು ವೇಳೆ
ತಪ್ಪಿಸಿಕೊಂಡು ದೇವರ ಚಿತ್ತವನ್ನು ಅನುಸರಿಸುವದಕ್ಕೆ ಸ್ವಸ್ಥಚಿತ್ತರಾದಾರು.

೩ ೧ ಆದರೆ ಕಡೇ ದಿವಸಗಳಲ್ಲಿ ಕಠಿಣಕಾಲಗಳು ಬರುವವೆಂಬದನ್ನು ತಿಳಿದುಕೋ.
೨ ಮನುಷ್ಯರು ಸ್ವಾರ್ಥಚಿಂತಕರೂ ಹಣದಾಸೆಯವರೂ ಬಡಾಯಿಕೊಚ್ಚುವವರೂ
ಅಹಂಕಾರಿಗಳೂ ದೂಷಕರೂ ತಂದೆತಾಯಿಗಳಿಗೆ ಅವಿಧೇಯರೂ ಉಪಕಾರ ನೆನಸದವರೂ
ದೇವಭಯವಿಲ್ಲದವರೂ ೩ ಮಮತೆಯಿಲ್ಲದವರೂ ಸಮಾಧಾನವಾಗದವರೂ ಚಾಡಿಹೇಳುವವರೂ
ದಮೆಯಿಲ್ಲದವರೂ ಉಗ್ರತೆಯುಳ್ಳವರೂ ಒಳ್ಳೇದನ್ನು ಪ್ರೀತಿಸದವರೂ, ೪ ದ್ರೋಹಿಗಳೂ
ದುಡುಕಿನವರೂ ಉಬ್ಬಿಕೊಂಡವರೂ ದೇವರನ್ನು ಪ್ರೀತಿಸದೆ ಭೋಗಗಳನ್ನೇ ಪ್ರೀತಿಸುವವರೂ,
೫ ಭಕ್ತಿಯ ವೇಷವಿದ್ದು ಅದರ ಬಲವನ್ನು ಬೇಡವೆನ್ನುವವರೂ ಆಗಿರುವರು ಇಂಥವರ
ಸಹವಾಸವನ್ನೂ ಮಾಡದಿರು. ೬ ಮನೆಗಳಲ್ಲಿ ನುಸುಳಿ ಪಾಪಗಳಿಂದ ತುಂಬಿದವರೂ
ನಾನಾ ವಿಧವಾದ ಇಚ್ಛೆಗಳಿಂದ ಪ್ರೇರಿತರೂ ಆಗಿರುವ ಅವಿವೇಕಿಗಳಾದ ಸ್ತ್ರೀಯರನ್ನು
ವಶಮಾಡಿಕೊಳ್ಳುವವರು ಇವರೊಳಗೆ ಸೇರಿದವರೇ. ೭ ಆ ಸ್ತ್ರೀಯರು ಯಾವಾಗಲೂ ಉಪದೇಶ
ಕೇಳುತ್ತಿದ್ದರೂ ಸತ್ಯದ ಪರಿಜ್ಞಾನವನ್ನು ಹೊಂದಲಾರದವರು. ೮ ಯನ್ನ ಯಂಬ್ರ ಎಂಬವರು
ಮೋಶೆಯನ್ನು ವಿರೋಧಿಸಿದಂತೆಯೇ ಆ ಮನುಷ್ಯರು ಸಹ ಸತ್ಯವನ್ನು ವಿರೋದಿಸುತ್ತಾರೆ.
ಬುದ್ದಿಗೆಟ್ಟವರೂ ಕ್ರಿಸ್ತ ನಂಬಿಕೆಯಿಂದ ಬ್ರಷ್ಟರೂ ೯ ಆದರೆ ಅವರ ಪ್ರಯತ್ನವು ಇನ್ನು
ಸಾಗುವದಿಲ್ಲ. ಆ ಯನ್ನ ಯಬ್ರರ ಮೂರ್ಖತನವು ಎಲ್ಲರಿಗೂ ಪರಿಷ್ಕಾರವಾಗಿ ತಿಳಿದು ಬಂದ
ಪ್ರಕಾರ ಇವರದೂ ತಿಳಿದು ಬರುವದು. ೧೦ ನೀನಾದರೂ ನನ್ನನ್ನು ಅನುಸರಿಸುವವನಾಗಿದ್ದು
ನನ್ನ ಬೋಧವೆ, ನಡತೆ ಉದ್ದೇಶ ನಂಬಿಕೆ ದೀರ್ಘಶಾಂತಿ ಪ್ರೀತಿ ಸೈರಣೆ ಇವುಗಳನ್ನೂ
೧೧ ಅಂತಿಯೋಕ್ಯ ಇಕೋನ್ಯ ಲುಸ್ತ್ರ ಎಂಬ ಪಟ್ಟಣಗಳಲ್ಲಿ ನನಗೆ ಸಂಭವಿಸಿದ ಹಿಂಸೆಗಳನ್ನೂ
ಕಷ್ಟಾನುಭವಗಳನ್ನೂ ತಿಳಿದವನಾಗಿದ್ದೀ. ನಾನು ಎಂಥೆಂಥಾ ಹಿಂಸೆಗಳನ್ನು ಸಹಿಸಿಕೊಂಡೆನು.
ಅವೆಲ್ಲವುಗಳಿಂದ ಕರ್ತನು ನನ್ನನ್ನು ಬಿಡಿಸಿದನು. ೧೨ ಕ್ರಿಸ್ತ ಯೇಸುವಿನಲ್ಲಿ ಸದ್ಭಕ್ತರಾಗಿ
ಜೀವಿಸುವದಕ್ಕೆ ಮನಸ್ಸು ಮಾಡುವವರೆಲ್ಲರೂ ಹಿಂಸೆಗೊಳಗಾಗುವರು. ೧೩ ಆದರೆ ದುಷ್ಟರೂ
ವಂಚಕರೂ ಇತರರನ್ನು ಮೋಸಮಾಡುತ್ತಾ ತಾವೇ ಮೋಸಹೋಗುತ್ತಾ ಹೆಚ್ಚಾದ ಕೆಟ್ಟತನಕ್ಕೆ
ಹೋಗುವರು. ೧೪ ನೀನಾದರೂ ಕಲಿತು ದೃಡವಾಗಿ ನಂಬಿದ ಬೋಧನೆಗಳಲ್ಲಿ ನೆಲೆಯಾಗಿರು.
ಕಲಿಸಿಕೊಟ್ಟವರು ಯಾರೆಂಬದನ್ನು ಆಲೋಚಿಸು. ಚಿಕ್ಕಂದಿನಿಂದಲೂ ನಿನಗೆ ಪರಿಶುದ್ಧಗ್ರಂಥಗಳ
ಪರಿಚಯವಾಯಿತಲ್ಲಾ. ೧೫ ಆ ಗ್ರಂಥಗಳ ಕ್ರಿಸ್ತ ಯೇಸುವಿನಲ್ಲಿರುವ ನಂಬಿಕೆಯ ಮೂಲಕ ರಕ್ಷಣೆ
ಹೊಂದಿಸುವ ಜ್ಞಾನವನ್ನು ಕೊಡುವದಕ್ಕೆ ಶಕ್ತವಾಗಿವೆ. ೧೬ ದೈವ ಪ್ರೇರಿತವಾದ ಪ್ರತಿಯೊಂದು
ಶಾಸ್ತ್ರವು ಉಪದೇಶಕ್ಕೂ ಖಂಡನೆಗೂ ತಿದ್ದುಪಾಟಿಗೂ ನೀತಿಶಿಕ್ಷೆಗೂ ಉಪಯುಕ್ತವಾಗಿದೆ.
೧೭ ಅದರಿಂದ ದೇವರ ಮನುಷ್ಯನು ಪ್ರವೀಣನಾಗಿ ಸಕಲಸತ್ಕಾರ್ಯಕ್ಕೆ ಸನ್ನದ್ದನಾಗುವನು.

೪ ೧ ದೇವರ ಮುಂದೆ ಮತ್ತು ಜೀವಿಸುವವರಿಗೂ ಸತ್ತವರಿಗೂ ನ್ಯಾಯತೀರಿಸುವದಕ್ಕೆ
ಬರುವ ಕ್ರಿಸ್ತ ಯೇಸುವಿನ ಮುಂದೆ ಆತನ ಪ್ರತ್ಯಕ್ಷತೆಯ ಮೇಲೆಯೂ ಆತನ ರಾಜ್ಯದ
ಮೇಲೆಯೂ ಆಣೆ ಇಟ್ಟು ನಾನು ನಿನಗೆ ಖಂಡಿತವಾಗಿ ಹೇಳುವದೇನಂದರೆ, ೨ ದೇವರ
ವಾಕ್ಯವನ್ನು ಸಾರು. ಅನುಕೂಲವಾದ ಕಾಲದಲ್ಲಿಯೂ ಅನುಕೂಲವಿಲ್ಲದ ಕಾಲದಲ್ಲಿಯೂ ಅದರಲ್ಲಿ
ಆಸಕ್ತವಾಗಿರು.ಪೂರ್ಣದೀರ್ಘಶಾಂತಿಯಿಂದ ಉಪದೇಶಿಸುತ್ತಾ ಖಂಡಿಸು, ಗದರಿಸು, ಎಚ್ಚರಿಸು.
೩ ಯಾಕಂದರೆ, ಜನರು ಸ್ವಸ್ಥಬೋಧನೆಯನ್ನು ಸಹಿಸಲಾರದ ಕಾಲವು ಬರುತ್ತದೆ. ಅದರಲ್ಲಿ ಅವರು
ತೀಟೇ ಕಿವಿಗಳುಳ್ಳವರಾಗಿ ತಮ್ಮ ದುರಾಶೆಗಳಿಗೆ ಅನುಕೂಲರಾದ ಅನೇಕ ಉಪದೇಶಕರನ್ನು
ಇಟ್ಟುಕೊಳ್ಳುವರು. ೪ ಅವರು ಸತ್ಯ ಬೋಧವೆಗೆ ಕಿವಿಗೊಡದೆ ಕಲ್ಪನಾ ಕಥೆಗಳನ್ನು ಕೇಳುವದಕ್ಕೆ
ಹೋಗುವರು. ೫ ಆದರೆ ನೀನು ಎಲ್ಲೆ ವಿಷಯಗಳಲ್ಲಿ ಸ್ವಸ್ಥಚಿತ್ತವಾಗಿರು. ಶ್ರಮೆಯನ್ನು ತಾಳಿಕೊ.
ಸೌವಾರ್ತಿಕನ ಕೆಲಸವನ್ನು ಮಾಡು. ನಿನಗೆ ನೇಮಿಸಿರುವ ಸೇವೆಯನ್ನು ಲೋಪವಿಲ್ಲದೆ
ನಡಿಸು. ೬ ಯಾಕಂದರೆ ನಾನಂತೂ ಈಗಲೇ ಪಾನದ್ರವ್ಯವಾಗಿ ಅರ್ಪಿತವಾಗುತ್ತಾ ಇದ್ದೇವೆ.
ನಾನು ಹೋರಟು ಹೋಗಬೇಕಾದ ಸಮಯವು ಸಮೀಪಕ್ಕೆ ಬಂದಿದೆ ೭ ಶ್ರೇಷ್ಠ ಹೋರಾಟವನ್ನು
ಮಾಡಿದ್ದೇನೆ.ನನ್ನ ಓಟವನ್ನು ಕಡೇಗಾಣಿಸಿದ್ದೆನೆ.ಕ್ರಿಸ್ತ ನಂಬಿಕೆಯನ್ನು ಕಾಪಾಡಿಕೊಂಡಿದ್ದೆನೆ.
೮ ನೀತಿವಂತರಿಗೆ ದೊರಕುವ ಜಯಮಾಲೆಯು ಮುಂದೆ ನನಗೆ ಸಿದ್ಧವಾಗಿದೆ.ಅದನ್ನು
ನೀತಿಯುಳ್ಳ ನ್ಯಾಯಾಧಿಪತಿಯಾಗಿರುವ ಕರ್ತವು ಆ ದಿನದಲ್ಲಿ ನನಗೆ ಕೊಡುವನು ನನಗೆ
ಮಾತ್ರವಲ್ಲದೆ ತನ್ನ ಪ್ರತ್ಯಕ್ಷತೆಯನ್ನು ಪ್ರೀತಿಸುವವರೆಲ್ಲಗೂ ಕೊಡುವನು.

### ಪೌಲನು ತನ್ನ ಸಮಾಚಾರವನ್ನು ತಿಳಿಸಿ ಆಯಾ ಜನರಿಗೆ ಹೇಳಿದ ವಂದನೆಗಳು.

೯ ನನ್ನ ಬಳಿಗೆ ಬೇಗ ಬರುವದಕ್ಕೆ ಪ್ರಯತ್ನ ಮಾಡು. ೧೦ ಯಾಕಂದರೆ ದೇಮನು ಇಹಲೋಕವನ್ನು
ಪ್ರೀತಿಸಿ ನನ್ನನ್ನು ಬಿಟ್ಟು ಥೆಸಲೋನಿಕಕ್ಕೆ ಹೋದನು. ಕ್ರೆಸ್ಕನು ಗಲಾತ್ಯಕ್ಕೆ, ತೀತನು ದಲ್ಮಾತ್ಯಕ್ಕೂ
ಹೋದನು. ಲೂಕನು ಮಾತ್ರ ನನ್ನ ಜೊತೆಯಲ್ಲಿದ್ದಾನೆ. ೧೧ ಮಾರ್ಕನನ್ನು ಸಂಗಡ ಕರಕೊಂಡು
ಬಾ. ಅವನು ನನಗೆ ಸೇವೆಗಾಗಿ ಉಪಯುಕ್ತನಾಗಿದ್ದಾನೆ. ೧೨-೧೩ ತುಖಿಕನನ್ನು ಎಫೆಸಕ್ಕೆ
ಕಳುಹಿಸಿದೆನು.ತ್ರೋವದಲ್ಲಿ ನಾನು ಕರ್ಪನ ಬಳಿಯಲ್ಲಿ ಬಿಟ್ಟು ಬಂದ ಮೇಲಂಗಿಯನ್ನೂ
ಪುಸ್ತಕಗಳನ್ನೂ ಮುಖ್ಯವಾಗಿ ಚರ್ಮದ ಕಾಗದಗಳನ್ನೂ ನೀನು ಬರುವಾಗ ತೆಗೆದುಕೊಂಡು ಬಾ.
೧೪ ಕಂಚುಗಾರನಾದ ಅಲೆಕ್ಸಾಂದ್ರನು ನನಗೆ ಬಹಳ ಕೇಡು ಮಾಡಿದನು.ಕರ್ತನು ಅವನ
ಕೃತ್ಯಗಳಿಗೆ ಸರಿಯಾಗಿ ಅವನಿಗೆ ಪ್ರತಿಫಲವನ್ನು ಕೊಡುವನು. ೧೫ ನೀನು ಸಹ ಅವನ
ವಿಷಯದಲ್ಲಿ ಎಚ್ಚರಿಕೆಯಾಗಿರು. ಅವನು ನಮ್ಮ ಮಾತುಗಳನ್ನು ಬಹಳವಾಗಿ ಎದುರಿಸಿದನು.
೧೬ ನಾನು ಮೊದಲನೆ ಸಾರಿ ಪ್ರತಿವಾದ ಮಾಡಿದಾಗ ಯಾರೂ ಣ್ನ ಕಡೆ ಆಗಲಿಲ್ಲ.ಎಲ್ಲರೂ ನನ್ನನ್ನು
ಕೈಬಿಟ್ಟರು.ಇದು ಅವರ ಲೆಕ್ಕಕ್ಕೆ ಸೇರಿಸಲ್ಪಡದೆ ಇರಲಿ. ೧೭ ಆದರೆ ಕರ್ತನು ನನ್ನ ಬಳಿಯಲ್ಲಿ
ನಿಂತು ನನ್ನನ್ನು ಬಲಪಡಿಸಿ ಣ್ನ ಮೂಲಕ ಸುವಾರ್ತೆಯು ಸಂಪೂರ್ಣವಾಗಿ ಸಾರಲ್ಪಡುವಂತೆಯೂ
ಅನ್ಯ ಜನರೆಲ್ಲರೂ ಅದನ್ನು ಕೇಳುವಂತೆಯೂ ಮಾಡಿದನು. ಇದಲ್ಲದೆ ಆತನು ನನ್ನನ್ನು ಸಿಂಹದ
ಬಾಯತೋಳಗಿಂದ ತಪ್ಪಿಸಿದನು. ೧೮ ನಾನು ಯಾವ ದುಷ್ಕೃತ್ಯವನ್ನೂ ಮಾಡದಂತೆ ಕರ್ತನು ನನ್ನನ್ನು
ಕಾಪಾಡಿ ತನ್ನ ಬಳಿಗೆ ಪರಲೋಕ ರಾಜ್ಯಕ್ಕೆ ಸೇರಿಸುವನು. ಯುಗಯುಗಾಂತರಗಳಲ್ಲಿಯೂ
ಆತನಿಗೆ ಸ್ತೋತ್ರ ಆಮೆನ್ ೧೯ ಪ್ರಿಸ್ಕಳಿಗೂ ಅಕ್ವಿಲ್ಲನಿಗೂ ಒನೆಸಿಫೊರನ ಮನೆಯವರಿಗೂ
ವಂದನೆ ಹೇಳು. ೨೦ ಎರಸ್ತನು ಕೊರಿಂಥದಲ್ಲಿನಿಂತನು. ತ್ರೊಫಿಮನು ಅಸೌಖ್ಯವಾಗಿದ್ದದರಿಂದ
ಅವಣ್ನು ಮಿಲೇತದಲ್ಲಿ ಬಿಟ್ಟೆನು. ೨೧ ಚಳಿಗಾಲಕ್ಕೆ ಮುಂಚೆಯೇ ಬರುವದಕ್ಕೆ ಪ್ರಯತ್ನಪಡು.
ಯುಬೂಲನು ಪೊದೆಯನೂ ಲೀನನೂ ಕ್ಲೌದ್ಯಳೂ ಉಳಿದ ಸಹೋದರರೆಲ್ಲರೂ ನಿನಗೆ ವಂದನೆ
ಹೇಳಿದ್ದಾರೆ. ೨೨ ಕರ್ತನು ನಿನ್ನ ಆತ್ಮದ ಸಂಗಡ ಇರಲಿ. ಕೃಪೆಯು ನಿಮ್ಮೊಂದಿಗಿರಲಿ.

# ಪೌಲನು ತೀತನಿಗೆ ಬರೆದ ಪತ್ರಿಕೆ

೧ ೧-೪ ದೇವರ ದಾಸನೂ ಯೇಸು ಕ್ರಿಸ್ತನ ಅಪೊಸ್ತಲನೂ ಆಗಿರುವ ಪೌಲನು ನಮ್ಮೆಲ್ಲರಿಗೆ
ಹುದುವಾಗಿರುವ ನಂಬಿಕೆಯ ಸಂಬಂಧದಲ್ಲಿ ನನ್ನ ನಿಜಕುಮಾರರನಾದ ತೀತನಿಗೆ
ಬರೆಯುವದೇನಂದರೆ, - ತಂದೆಯಾದ ದೇವರಿಂದಲೂ ನಮ್ಮ ರಕ್ಷಕವಾದ ಕ್ರಿಸ್ತ
ಯೇಸುವಿನಿಂದಲೂ ನಿನಗೆ ಕೃಪೆಯೂ ಶಾಂತಿಯೂ ಆಗಲಿ. ದೇವರಾದುಕೊಂಡವರ
ನಂಬಿಕೆಯೂ ಭಕ್ತಿಯನ್ನುಂಟುಮಾಡುವ ಸತ್ಯದ ಪರಿಜ್ಞಾನವೂ ವೃದ್ದಿಯಾಗುವದಕ್ಕೋಸ್ಕರವೇ
ಅಪೊಸ್ತಲನಾಗಿದ್ದೇನೆ. ಆ ನಂಬಿಕೆಗೂ ಸತ್ಯದ ಪರಿಜ್ಞಾನಕ್ಕೂ ನಿತ್ಯಜೀವದ ನಿರೀಕ್ಷೆಯೇ
ಆಧಾರವಾಗಿದೆ. ಸುಳ್ಳಾಡದ ದೇವರು ಆ ನಿತ್ಯಜೀವವನ್ನು ಕೊಡುತ್ತೇನೆಂದು ಅನಾದಿಕಾಲದಲ್ಲಿ
ವಾಗ್ದಾನಮಾಡಿ ಕ್ಲುಪ್ತ ಸಮಯದಲ್ಲಿ ವಾಗ್ದಾನ ನೆರವೇರಿಸಿ ಪ್ರಸಂಗದ ಮೂಲಕ ಪ್ರಕಟಿಸಿದನು. ಆ
ಪ್ರಸಂಗೋದ್ಯೋಗವು ನಮ್ಮ ರಕ್ಷಕನಾದ ದೇವರ ಅಪ್ಪಣೆಯ ಪ್ರಕಾರ ನನಗೆ ಒಪ್ಪಿಸಲ್ಪಟ್ಟದೆ.

## ಸಭೆಯ ಹಿರಿಯರಲ್ಲಿ ಇರಬೇಕಾದ ಲಕ್ಷಣಗಳು

೫ ನೀನು ಕ್ರೇತದ್ವೀಪದಲ್ಲಿ ಇನ್ನೂ ಕ್ರಯಕ್ಕೆ ಬಾರದಿರುವ ಕಾರ್ಯಗಳನ್ನು ಕ್ರಮಪಡಿಸಿ
ಪಟ್ಟಣ ಪಟ್ಟಣಗಳಲ್ಲೂ ಸಭೆಯ ಹಿರಿಯರನ್ನು ನೇಮಿಸಬೇಕೆಂದು ನಾನು ನಿನಗೆ
ಅಪ್ಪಣೆಕೊಟ್ಟು ನಿನ್ನನ್ನು ಅಲ್ಲೇ ಬಿಟ್ಟು ಬಂದೆನಲ್ಲಾ ೬ ಸಭೆಯ ಹಿರಿಯನು ನಿಂದಾರಹಿತನೂ
ಏಕಪತ್ನಿಯುಳ್ಳವನೂ ಆಗಿರಬೇಕು. ಅವನ ಮಕ್ಕಳು ಕರ್ತನನ್ನು ನಂಬಿದವರಾಗಿರಬೇಕು.
ಅವರು ದುರ್ಮಾರ್ಗಸ್ಥರೆನಿಸಿಕೊಂಡವರಾಗಲಿ ಅಧಿಕಾರಕ್ಕೆ ಒಳಗಾಗದವರಾಗಲಿ
ಆಗಿರಬಾರದು. ೭ ಯಾಕಂದರೆ ಸಭಾಧ್ಯಕ್ಷನು ದೇವರ ಮನೆವಾರ್ತೆಯವನಾಗಿರುವದರಿಂದ
ನಿಂದಾರಹಿತನಾಗಿರಬೇಕು. ಅವನು ಸ್ವೇಚ್ಛಾಪರನಾದರೂ ಮುಂಗೋಪಿಯಾದರೂ ಕುಡಿದು
ಜಗಳಮಾಡುವವನಾದರೂ ಹೊಡೆದಾಡುವವನಾದರೂ ನೀಚಲಾಭವನ್ನು ಅಪೇಕ್ಷಿಸುವವನಾದರೂ
ಆಗಿರದೆ, ೮ ಅತಿಥಿಸತ್ಕಾರಮಾಡುವವನೂ, ಒಳ್ಳೇದನ್ನು ಪ್ರೀತಿಸುವವನೂ ಸ್ವಸ್ಥಚಿತ್ತನೂ
ನ್ಯಾಯವಂತನೂ ದೇವಭಕ್ತನೂ ಜಿತೇಂದ್ರಿಯನೂ ಆಗಿದ್ದು ೯ ತಾನು ಸ್ವಸ್ಥಬೋಧನೆಯಿಂದ
ಜನರನ್ನು ಎಚ್ಚರಿಸುವದಕ್ಕೂ ಎದುರಿಸುವವರ ಬಾಯಿ ಕಟ್ಟುವದಕ್ಕೂ ಶಕ್ತನಾಗಿರುವಂತೆ ಕ್ರಿಸ್ತ
ಬೋಧಾನುಸಾರವಾದ ನಂಬತಕ್ಕ ವಾಕ್ಯವನ್ನು ದೃಡವಾಗಿ ಹಿಡಿದುಕೊಂಡವನಾಗಿರಬೇಕು.

## ಅಧಿಕಾರಕ್ಕೆ ಒಳಗಾಗದವರ ವಿಷಯದಲ್ಲಿ ತೀತನು ಮಾಡಬೇಕಾದದ್ದು.

೧೦ ಅನೇಕರು ಬರೀ ಮಾತಿನವರಾಗಿಯೂ ಮೋಸಗಾರರಾಗಿಯೂ ಇದ್ದು ಅಧಿಕಾರಕ್ಕೆ
ಒಳಗಾಗದವರಾಗಿದ್ದಾರೆ. ಅವರೊಳಗೆ ಹೆಚ್ಚು ಜನರು ಸುನ್ನತಿಯವರು. ೧೧ ಅವರು
ನೀಚಲಾಭವನ್ನು ಹೊಂದುವದಕ್ಕಾಗಿ ಮಾಡಬಾರದ ಉಪದೇಶವನ್ನು ಮಾಡಿ ಕುಟುಂಬ
ಕುಟುಂಬಗಳನ್ನೆ ಹಾಳುಮಾಡುತ್ತಾರಾದದರಿಂದ ಅವರ ಬಾಯಿ ಮುಚ್ಚಿಸಬೇಕಾಗಿದೆ.
೧೨ ಕ್ರೇತದವರು ಯಾವಾಗಲೂ ಸುಳ್ಳುಗಾರರೂ ದುಷ್ಟಮೃಗಗಳೂ ಸೋಮಾರಿಗಳಾದ
ಹೊಟ್ಟೆಬಾಕರೂ ಆಗಿದ್ದಾರೆಂದು ಅವರಲ್ಲಿಯೇ ಹುಟ್ಟಿದ ಒಬ್ಬ ಪ್ರವಾದಿಯು ಹೇಳಿದನು. ಈ
ಸಾಕ್ಷಿಯು ನಿಜವೇ. ೧೩-೧೪ ಆದಕಾರಣ ಅವರು ಯೆಹೂದ್ಯರ ಕಲ್ಪನಾಕಥೆಗಳಿಗೂ ಸತ್ಯಭ್ರಷ್ಟರಾದ
ಮನುಷ್ಯರ ವಿಧಿಗಳಿಗೂ ಲಕ್ಷಕೊಡದೆ ಕ್ರಸ್ತ ನಂಬಿಕೆಯಲ್ಲಿ ಸ್ವಸ್ಥಚಿತ್ತರಾಗಿರುವಂತೆ ಅವರನ್ನು
ಕಠಿಣವಾಗಿ ಖಂಡಿಸು. ೧೫ ಶುದ್ಧರಿಗೆ ಎಲ್ಲವೂ ಶುದ್ಧವೇ. ಆದರೆ ಮಲಿನವಾದವರಿಗೂ
ನಂಬಿಕೆಯಿಲ್ಲದವರಿಗೇ ಯಾವದೂ ಶುದ್ಧವಲ್ಲ. ಅವರ ಬುದ್ಧಿಯೂ ಮನಸ್ಸಾಕ್ಷಿಯೂ ಎರಡೂ
ಮಲಿನವಾಗಿವೆ. ೧೬ ಅವರು ತಾವು ದೇವರನ್ನು ಅರಿತವರೆಂದು ಹೇಳಿಕೊಳ್ಳುತ್ತಾರೆ. ಆದರೆ
ಅವರು ಅಸಹ್ಯರೂ ಅವಿಧೇಯರೂ ಸತ್ಕಾರ್ಯಗಳಿಗೆಲ್ಲಾ

## ವೃದ್ಧರು ಪ್ರಾಯಸ್ಥರೂ ಸ್ತ್ರೀಪುರುಷರೂ ಎಲ್ಲರೂ ಸುನಡತೆಯುಳ್ಳವರಾಗಿರಬೇಕೆಂಬದೇ ಕ್ರೈಸ್ತ ಸದ್ಧರ್ಮದ ಬೋಧನೆ.

೨ ೧ ನೀನಾದರೋ ಸ್ವಸ್ಥಬೋಧನೆಗೆ ಅನುಗುಣವಾಗಿ ಉಪದೇಶಮಾಡು. ೨ ಹೇಗೆಂದರೆ
ವೃದ್ದರು ಮದ್ಯಾಸಕ್ತಿಯಿಲ್ಲದವರೂ ಗೌರವವುಳ್ಳವರೂ ಜಿತೇಂದ್ರಿಯರೂ ನಂಬಿಕೆ ಪ್ರೀತಿ
ತಾಳ್ಮೆ ಇವುಗಳಲ್ಲಿ ಸ್ವಸ್ಥರೂ ಆಗಿರಬೇಕೆಂದು ಬೋಧಿಸು. ಹಾಗೇಯೇ ವೃದ್ಧ ಸ್ತ್ರೀಯರು

ಚಾಡಿ ಹೇಳುವವರೈ ಮದ್ಯಕ್ಕೆ ಗುಲಾಮರೂ ಆಗಿರದೇ ದೇವಭಕ್ತೆಯರಿಗೆ ಯೋಗ್ಯವಾದ
ನಡತೆಯುಳ್ಳವರೂ ಸದ್ಬೋದನೆ ಹೇಳುವವರೂ ಆಗಿರಬೇಕೆಂದು ಬೋಧಿಸು. ೪ ಇದಲ್ಲದೆ
ಅವರು ಪ್ರಾಯದ ಸ್ತ್ರೀಯರಿಗೆ ನಿಮ್ಮ ಮೂಲಕ ದೇವರ ವಾಕ್ಯಕ್ಕೆ ದೂಷಣೆಯಾಗದಂತೆ
ನೀವು ಗಂಡಂದಿರನ್ನೂ ಮಕ್ಕಳನ್ನೂ ಪ್ರೀತಿಸುವವರೂ ದಮೆಯುಳ್ಳವರೂ ಪತಿವ್ರತೆಯರೂ
, ೫ ಮನೆಯಲ್ಲೇ ಕೆಲಸಮಾಡುವವರೂ ಸುಶೀಲೆಯರೂ ನಿಮ್ಮ ಗಂಡಂದಿರಿಗೆ ಅಧಿನರೂ
ಆಗಿರಬೇಕೆಂದು ಬುದ್ದಿಕಲಿಸುವ ಹಾಗೆ ಬೋಧಿಸು. ೬ ಹಾಗೇಯೇ ಎಲ್ಲಾ ವಿಷಯಗಳಲ್ಲೂ
ಜಿತೇಂದ್ರಿಯರಾಗಿರಬೇಕೆಂದು ನೀನು ಯೌವನಸ್ಥರನ್ನು ಎಚ್ಚರಿಸು. ೭ ಸತ್ಕಾರ್ಯ
ಮಾಡುವದರಲ್ಲಿ ನೀನೇ ಮಾದರಿಯಾಗಿರು. ನೀನು ಮಾಡುವ ಉಪದೇಶದಲ್ಲಿ ಯಥಾರ್ಥತ್ವವೂ
ಗೌರವವೂ ಆಕ್ಷೇಪಣೆಗೆ ಆಸ್ಪದವಿಲ್ಲದಂಥ ಸ್ವಸ್ಥಬುದ್ದಿಯೂ ಇರಬೇಕು. ೮ ಆಗ ನಮ್ಮನ್ನು
ಎದುರಿಸುವವರು ನಮ್ಮ ವಿಷಯದಲ್ಲಿ ಕೆಟ್ಟದ್ದೇನೂ ಹೇಳುವದಕ್ಕೆ ಅವಕಾಶವಿಲ್ಲದೆ
ನಾಚಿಕೊಳ್ಳುವರು. ೯ ದಾಸರು ಎಲ್ಲಾದರಲ್ಲಿ ತಮ್ಮ ಯಜಮಾವರಿಗೆ ಅಧೀನರಾಗಿದ್ದು
ಅವರನ್ನು ಮೆಚ್ಚಿಸುವದಕ್ಕೆ ಪ್ರಯಾಸಪಡುತ್ತಾ , ೧೦ ಎದುರುಮಾತನ್ನಾಡದೆ ಯಾಬುದನ್ನೂ
ಕದ್ದಿಟ್ಟುಕೊಳ್ಳದೆ ಪೂರಾ ನಂಬಿಗಸ್ತರೆಂದು ಹೆಸರುಹೊಂದಿ, ನಮ್ಮ ರಕ್ಷಕನಾದ ದೇವರ
ಉಪದೇಶಕ್ಕೆ ಎಲ್ಲಾ ವಿಷಯಗಳಲ್ಲಿ ಅಲಂಕಾರವಗಿರಬೇಕೆಂದು ಬೋಧಿಸು. ೧೧ ಯಾಕಂದರೆ
ಎಲ್ಲಾ ಮನುಷ್ಯರಿಗೆ ರಕ್ಷಣೆಯನ್ನುಂಟುಮಾಡುವ ದೇವರ ಕೃಪೆಯು ಪ್ರತ್ಯಕ್ಷವಾಯಿತು.
೧೨-೧೩ ನಾವು ಭಕ್ತಿ ಹೀನತೆಯನ್ನೂ ಲೋಕದ ಆಶೆಗಳನ್ನೂ ವಿಸರ್ಜಿಸಿ ಭಾಗ್ಯಕರವಾದ
ನಿರೀಕ್ಷೆಯನ್ನು ಅಂದರೆ ಮಹಾ ದೇವರು ಮತ್ತು ನಮ್ಮ ರಕ್ಷಕನಾದ ಯೇಸು ಕ್ರಿಸ್ತನ ಪ್ರಭಾವದ
ಪ್ರತ್ಯಕ್ಷತೆಯನ್ನು ಎದುರುನೋಡುತ್ತಾ ಇಹಲೋಕದಲ್ಲಿ ಸ್ವಸ್ಥಚಿತ್ತರಾಗಿಯೂ ನೀತಿವಂತರಾಗಿಯೂ
ಭಕ್ತಿಯುಳ್ಳವರಾಗಿಯೂ ಬದುಕಬೇಕೆಂದು ಅದು ನಮಗೆ ಬೋಧಿಸುತ್ತದೆ. ೧೪ ಆತನು ನಮ್ಮನ್ನು
ಸಕಲ ಅಧರ್ಮದಿಂದ ವಿಮೋಚಿಸುವದಕ್ಕೂ ಸತ್ಕ್ರಿಯೆಗಳಲ್ಲಿ ಆಸಕ್ತರಾದ ಸ್ವಕೀಯಜನರನ್ನು
ತನಗಾಗಿ ಪರಿಶುದ್ಧ ಮಾಡುವದಕ್ಕೂ ನಮಗೋಸ್ಕರ ತನ್ನನ್ನು ಒಪ್ಪಿಸಿಕೊಟ್ಟನು.
೧೫ ಈ ಕಾರ್ಯಗಳ ವಿಷಯದಲ್ಲಿ ಬೋಧಿಸುತ್ತಾ ಎಚ್ಚರಿಸುತ್ತಾ ಪೂರ್ಣ ಅಧಿಕಾರದಿಂದ
ಖಂಡಿಸುತ್ತಾ ಇರು. ಯಾರೂ ನಿನ್ನನ್ನು ತಿರಸ್ಕರಿಸದ ಹಾಗೆ ನೋಡಿಕೋ,

೩ ೧ ಅಧಿಪತಿಗಳಗೂ ಅಧಿಕಾರಿಗಳಗೂ ಅಧೀವರಾಗಿ ವಿಧೇಯರಾಗಿಬೇಕಂತಲೂ
ಸಕಲ ಸತ್ಕಾರ್ಯಗಳನ್ನು ಮಾಡುವದಕ್ಕೆ ಸಿದ್ದರೆಗಿರಬೇಕಂತಲೂ , ೨ ಯಾರನ್ನೂ
ದೂಷಿಸದೆ ಕುತರ್ಕಮಾಡದೆ ಎಲ್ಲಾ ಮನುಷ್ಯರಗೆ ಪೂರ್ಣಸಾಧು ಗುಣವನ್ನು ತೋರಿಸುತ್ತಾ
ಸಾತ್ವಿಕರಾಗಿಬೇಕೆಂದು ಅವರಿಗೆ ಜ್ಞಾಪಕ ಕೊಡು. ೩ ನಾವು ಸಹ ಮೊದಲು ಅವಿವೇಕಿಗಳೂ
ಅವಿಧೇಯರೂ ಮೋಸಹೋದವರೂ ನಾನಾ ವಿಧವಾದ ದುರಾಶೆಗಳಿಗೆ ಮತ್ತು ಭೋಗಗಳಿಗೆ
ಅಧೀನರೂ ಕೆಟ್ಟತನ ಹೊಟ್ಟೆಕಿಚ್ಚುಗಳಲ್ಲಿ ಕಾಲಕಳೆಯುವವರೂ ಅಸಹ್ಯರೂ ಒಬ್ಬರನ್ನೊಬ್ಬರು
ಹಗೆಮಾಡುವವರೂ ಆಗಿದ್ದೆವು. ೪ ಆದರೆ ರಕ್ಷಕನಾದ ದೇವರ ದಯೆಯು ಜನೋಪಕಾರವು
ಪ್ರತ್ಯಕ್ಷವಾದಾಗ ನಾವು ಮಾಡಿದ ಪುಣ್ಯಕ್ರಿಯೆಗಳ ನಿಮಿತ್ತದಿಂದಲ್ಲ ಆತನ ಕರುಣೆಯಲ್ಲಿಯೇ
ಪುನರ್ಜನ್ಮವನ್ನು ಸೂಚಿಸುವ ಸ್ನಾನದ ಮೂಲಕವಾಗಿಯೂ ಪವಿತ್ರಾತ್ಮನು ನಮ್ಮಲ್ಲಿ ನೂತನ
ಸ್ವಭಾವವನ್ನು ಉಂಟು ಮಾಡುವದರ ಮೂಲಕವಾಗಿಯೂ ಆತನು ನಮ್ಮನ್ನು ರಕ್ಷಿಸಿದನು.
೬-೭ ನಾವು ನಮ್ಮ ರಕ್ಷಕವಾದ ಯೇಸು ಕ್ರಿಸ್ತನ ಕೃಪೆಯಿಂದ ನೀತಿವಂತರೆಂದು ನಿರ್ಣಯಿಸಲ್ಪಟ್ಟು
ನಿತ್ಯ ಜೀವದ ನಿರೀಕ್ಷೆಯನ್ನು ಪಡೆದು ಅದಕ್ಕೆ ಬಾಧ್ಯರಾಗುವಂತೆ ದೇವರು ಆತವ ಮೂಲಕ
ಪವಿತ್ರಾತ್ಮವನ್ನು ನಮ್ಮ ಮೇಲೆ ಸಮೃದ್ದಿಯಾಗಿ ಸುರಿಸಿದನು. ಇದು ನಂಬತಕ್ಕ ಮಾತಾಗಿದೆ.
೮ ದೇವರಲ್ಲಿ ನಂಬಿಕೆ ಇಟ್ಟಿರುವವರು ಸತ್ಕ್ರಿಯೆಗಳನ್ನು ಮಾಡುವದರಲ್ಲಿ ಜಾಗರೂಕರಾಗಿರುವಂತೆ
ನೀನು ಈ ಎಲ್ಲಾ ಮಾತುಗಳನ್ನು ದೃಡವಾಗಿ ಹೇಳಬೇಕೆಂದು ಅಪೇಕ್ಷಿಸುತ್ತೇನೆ. ಇವು ಉತ್ತಮವೂ
ಮನುಷ್ಯರಿಗೆ ಪ್ರಯೋಜನಕರವೂ ಆಗಿವೆ. ೯ ಆದರೆ ಬುದ್ದಿಯಿಲ್ಲದ ವಿತರ್ಕಗಳಿಗೂ
ವಂಶಾವಳಿಗಳಿಗೂ ಜಗಳಗಳಿಗೂ ವಾಗ್ವಾದಗಳಿಗೂ ದೂರವಾಗಿರು. ಅವು ನಿಷ್ಪ್ರಯೋಜನವೂ
ವ್ಯರ್ಥವೂ ಆಗಿವೆ. ೧೦ ಸಭೆಯಲ್ಲಿ ಭೇದಹುಟ್ಟಿಸುವ ಮನುಷ್ಯನನ್ನು ಎರಡು ಸಾರಿ ಬುದ್ದಿ ಹೇಳಿದ
ಮೇಲೆ ಬಿಟ್ಟು ಬಿಡು. ೧೧ ಅಂಥವನು ಸನ್ಮಾರ್ಗ ತಪ್ಪಿದವನೂ ಪಾಪಮಾಡುವವನೂ ಆಗಿದ್ದಾನೆ.
ತಾನು ಶಿಕ್ಷಾಪಾತ್ರನೆಂದು ಅವನ ಮನಸ್ಸೆ ನಿರ್ಣಯಿಸುವದು.

## ಕಡೇ ಮಾತುಗಳು.

೧೨ ನಾನು ನಿಕೊಪೊಲಿಯಲ್ಲಿ ಚಳಿಗಾಲವನ್ನು ಕಳೆಯಬೇಕೆಂದು ನಿಶ್ಚಯಿಸಿಕೊಂಡದ್ದರಿಂದ
ಅರ್ತೆಮನನ್ನಾಗಲಿ ತುಖಿಕನನ್ನಾಗಲಿ ನಿನ್ನ ಬಳಿಗೆ ಕಳುಹಿಸಿದ ಕೂಡಲೆ ಅಲ್ಲಿಗೆ ನನ್ನ
ಹತ್ತಿರ ಬರುವದಕ್ಕೆ ಪ್ರಯತ್ನ ಮಾಡು. ೧೩ ನ್ಯಾಯಶಾಸ್ತ್ರಿ ಜೇನನನ್ನೂ ಅಪೊಲ್ಲೋಸನನ್ನೂ
ಜಾಗ್ರತೆಯಾಗಿ ಸಾಗಕಳುಹಿಸು. ಅವರಿಗೇನೂ ಕೊರತೆಯಾಗಬಾರದು. ೧೪ ನಮ್ಮ ಜನರು
ಸತ್ಕ್ರಿಯಾಹೀನರಾಗದಂತೆ ಅವರೂ ಸಹೋದರರಿಗೆ ಬೇಕಾದದ್ದನ್ನು ಕೊಡುವವರಾಗಿ
ಪರೋಪಕಾರವನ್ನು ಕಲಿತುಕೊಳ್ಳಲಿ. ೧೫ ನನ್ನೊಂದಿಗಿರುವವರೆಲ್ಲರೂ ನಿನಗೆ ವಂದನೆ
ಹೇಳುತ್ತಾರೆ. ಕ್ರಿಸ್ತನನ್ನು ನಂಬುವವರಾಗಿ ನಮ್ಮನ್ನು ಪ್ರೀತಿಸುವವರಿಗೆ ವಂದವೆ ಹೇಳು.
ಕೃಪೆಯು ನಿಮ್ಮೆಲ್ಲರೊಂದಿಗೆ ಇರಲಿ.

# ಪೌಲನು ಫಿಲಮೋನನಿಗೆ ಬರೆದ ಪತ್ರಿಕೆ

೧ ೧ ಕ್ರಿಸ್ತ ಯೇಸುವಿನ ಸೆರೆಯವನಾಗಿರುವ ಪೌಲನೂ ಸಹೋದರನಾದ ತಿಮೊಥೆಯನೂ
ನಮಗೆ ಪ್ರಿಯನೂ ಜೊತೆಗೆಲಸದವನೂ ಆಗುರುವ ಫಿಎಮೋನನೆಂಬ ನಿನಗೂ
೨ ಸಹೋದರಿಯಾದ ಅಪ್ಪಿಯಳಿಗೂ ನಮ್ಮ ಸಹಭಟನಾದ ಅರ್ಖಿಪ್ಪನಿಗೂ ನಿನ್ನ ಮನೆಯಲ್ಲಿ
ಕೂಡುವ ಸಭೆಯವರಿಗೂ ಬರೆಯುವದೇನಂದರೆ, ೩ ನಮ್ಮ ತಂದೆಯಾದ ದೇವರಿಂದಲೂ
ಕರ್ತನಾದ ಯೇಸು ಕ್ರಿಸ್ತನಿಂದಲೂ ನಿಮಗೆ ಕೃಪೆಯೂ ಶಾಂತಿಯೂ ಆಗಲಿ.

ಫಿಲೆಮೋನನ ಸದ್ಗುಣಗಳ ನಿಮಿತ್ತ ಪೌಲನು ದೇವರಿಗೆ ಮಾಡುವ ಸ್ತೋತ್ರ.

೪ ಕರ್ತನಾದ ಯೇಸುವಿನ ಮೇಲೆ ನೀನು ಇಟ್ಟಿರುವ ನಂಬಿಕೆಯನ್ನು ಕುರಿತು ದೇವಜನರೆಲ್ಲರ
ಮೇಲಿರುವ ನಿನ್ನ ಪ್ರೀತಿಯನ್ನು ಕುರಿತು ಕೇಳಿದ್ದರಿಂದ, ೫ ನಾನು ಪ್ರಾರ್ಥನೆ ಮಾಡುವಾಗೆಲ್ಲಾ
ದೇವರಿಗೆ ಯಾವಾಗಲೂ ಸ್ತೋತ್ರವನ್ನು ಸಲ್ಲಿಸಿ ನಿನಗೋಸ್ಕರ ವಿಜ್ಞಾಪನೆ ಮಾಡುತ್ತೇನೆ.
೬ ಕ್ರಿಸ್ತನಲ್ಲಿ ನಮಗೆ ದೊರಕಿರುವ ಎಲ್ಲಾ ಸುವರಗಳನ್ನು ಕುರಿತು ನೀನು ತಿಳುವಳಿಕೆಯನ್ನು
ಹೊಂದುತ್ತಿರುವಲ್ಲಿ ಕ್ರಿಸ್ತ ನಂಬಿಕೆಯಲ್ಲಿರುವ ನಿನ್ನ ಅನ್ಯೋನ್ಯತೆಯೂ ಕ್ರಿಸ್ತನಿಗೆ ಹೆಚ್ಚಾದ
ಮಹಿಮೆಯನ್ನು ಉಂಟುಮಾಡಬೇಕೆಂದು ಪ್ರಾರ್ಥಿಸುತ್ತೇನೆ. ೭ ಸಹೋದರರೇ, ನಿನ್ನ ಮೂಲಕ
ದೇವಜನರ ಹೃದಯಗಳಿಗೆ ಪ್ರೋತ್ಸಾಹ ಉಂಟಾದದರಿಂದ ನಿನ್ನ ಪ್ರೀತಿಯ ನಿಮಿತ್ತ ನನಗೆ ಬಹಳ
ಸಂತೋಷವೂ ಆಧರಣೆಯೂ ಉಂಟಾದವು.

ಓಡಿಹೋದ ಓನೇಸಿಮನೆಂಬ ದಾಸನನ್ನು ಕ್ಷಮಿಸಿ ಸೇರಿಸಿಕೊಳ್ಳಬೇಕೆಂದು ವಿಜ್ಞಾಪನೆ.

೮ ಆದಕಾರಣ ನಿನಗೆ ಯುಕ್ತವಾದದ್ದನ್ನು ಆಜ್ಞಾಪಿಸುವದಕ್ಕೆ ನನಗೆ ಕ್ರಿಸ್ತನಲ್ಲಿ ಪೂರಾ
ಅಧಿಕಾರವಿದ್ದರೂ ಹಾಗೆ ಆಜ್ಞಾಪಿಸದೇ ೯ ಮುದುಕನೂ ಈಗ ಕ್ರಿಸ್ತಯೇಸುವಿನ ನಿಮಿತ್ತ
ಸೆರೆಯವನೂ ಆಗಿರುವ ಈ ಪೌಲನೆಂಬ ನಾನು ಪ್ರಿತಿಯ ನಿಮಿತ್ತ ನಿನ್ನನ್ನು ಬೇಡಿಕೊಳ್ಳುತ್ತೇನೆ.
೧೦ ನಾನು ಸೆರೆಯಲ್ಲಿ ಪಡೆದಿರುವ ನನ್ನ ಮಗನಾದ ಓನೇಸಿಮನ ವಿಷಯದಲ್ಲಿ ನಿನ್ನನ್ನು
ಬೇಡಿಕೊಳ್ಳುತ್ತೇನೆ. ೧೧ ಅವನು ಮೊದಲು ನಿನಗೆ ಅಪ್ರಯೋಜಕನಾಗಿದ್ದನು. ಈಗ ನಿನಗೂ
ನನಗೂ ಪ್ರಯೋಜಕನಾಗಿದ್ದಾನೆ. ೧೨ ಅವನು ನನಗೆ ಪ್ರಾಣದಂತಿದ್ದರೂ ಅವನನ್ನು ನಿನ್ನ ಬಳಿಗೆ
ಹಿಂದಕ್ಕೆ ಕಳುಹಿಸಿಕೊಟ್ಟಿದ್ದೇನೆ. ೧೩ ನಾನು ಸುವಾರ್ತೆಯ ನಿಮಿತ್ತ ಸೆರೆಮನೆಯಲ್ಲಿರಲಾಗಿ
ನಿನಗೆ ಬದಲಾಗಿ ಅವನು ನನಗೆ ಉಪಚಾರಮಾಡುವಂತೆ ಅವನನ್ನು ನನ್ನ ಬಳಿಯಲ್ಲೇ
ಇಟ್ಟುಕೊಳ್ಳಬೇಕೆಂದು ಯೋಚಿಸಿದ್ದೇನೆ. ೧೪ ಆದರೆ ನಿನ್ನ ಉಪಕಾರವು ಬಲತ್ಕಾರದಿಂದಾಗದೆ
ಮನಃಪೂರ್ವಕವಾಗಿಯೇ ಇರಬೇಕೆಂದು ಯೋಚಿಸಿ ನಿನ್ನ ಸಮ್ಮತಿಯಿಲ್ಲದೆ ಏನು
ಮಾಡುವದಕ್ಕೂ ನನಗೆ ಇಷ್ಟವಿರಲಿಲ್ಲ. ೧೫ ಅವನು ಸ್ವಲ್ಪ ಕಾಲ ನಿನ್ನಿಂದ ಅಗಲಿಸಲ್ಪಟ್ಟದ್ದು
ನಿರಂತರವೂ ನಿನ್ನವನಾಗಬೇಕೆಂಬದಕ್ಕೋಸ್ಕರವೋ ಏನೋ. ೧೬ ಇನ್ನು ಮೇಲೆ ಅವನು
ದಾಸನಾಗದೆ ದಸನಿಗಿಂತ ಉತ್ತಮವಾಗಿ ಪ್ರಿಯ ಸಹೋದರನಂತಾಗಬೇಕು. ಅವನು ನನಗೆ
ಬಹಳ ಪ್ರಿಯನಾಗಿರುವಲ್ಲಿ ನಿನಗೆ ಲೋಕಸಂಬಂಧದಲ್ಲಿಯೂ ಕರ್ತನ ಸಂಬಂಧದಲ್ಲಿಯೂ ಇನ್ನೂ
ಎಷ್ಟೋ ಪ್ರಿಯವಾಗಿರುವನು ೧೭ ಹಾಗಾದರೆ ನೀನು ನನ್ನನ್ನು ಜೊತೆಗಾರನೆಂದು ಎಣಿಸಿದರೆ
ನನ್ನನ್ನು ಸೇರಿಸಿಕೊಳ್ಳುವ ಪ್ರಕಾರವೇ ಅವನನ್ನು ಸೇರಿಕೋ. ೧೮ ಅವನಿಂದ ನೀನು ಏನಾದರೂ
ನಷ್ಟಪಟ್ಟಿದ್ದರೆ ಅಥವಾ ಅವನು ಸಾಲವೇನಾದರೂ ತೀರಿಸಬೇಕಾಗಿದ್ದರೆ ಅದನ್ನು ನನ್ನ
ಲೆಕ್ಕಕ್ಕೆ ಹಾಕು. ೧೯ ನಾನೇ ಕೊಟ್ಟು ತೀರಿಸುತ್ತೇನೆಂದು ಪೌಲನೆಂಬ ನಾನು ಸ್ವಂತ ಕೈಯಿಂದ
ಬರೆದಿದ್ದೇನೆ. ನಿನ್ನ ಆತ್ಮದ ವಿಷಯದಲ್ಲಿ ನೀನೇ ನನ್ನ ಸಾಲದಲ್ಲಿದ್ದೀ ಎಂದು ನಾನು ಬೇರೆ
ಹೇಳಬೇಕೇ. ೨೦ ಹೌದು ಸಹೋದರನೇ, ಕರ್ತನಲ್ಲಿ ನಿನ್ನಿಂದ ನನಗೆ ಪ್ರಯೋಜನವಾಗುವ
ಹಾಗೆ ಮಾಡು. ಕ್ರಿಸ್ತನಲ್ಲಿ ನನ್ನ ಹೃದಯವನ್ನು ಸಂತೋಷಪಡಿಸು. ೨೧ ನನ್ನ ಮಾತನ್ನು ಕೇಳುವಿ.
ಎಂಬ ಭರವಸವುಳ್ಳವನಾಗಿ ಈ ಪತ್ರಿಕೆಯನ್ನು ನಿನಗೆ ಬರೆದಿದ್ದೇನೆ. ನಾನು ಹೇಳುವದಕ್ಕಿಂತಲೂ
ಹೆಚ್ಚಾಗಿ ಮಾಡುವಿ ಎಂದು ನನಗೆ ಗೊತ್ತುಂಟು.

## ಕಡೇ ಮಾತುಗಳು ವಂದನೆಗಳು

೨೨ ಇದಲ್ಲದೆ ದೇವರು ನಿನ್ನ ಪ್ರಾರ್ಥನೆಗಳನ್ನು ಕೇಳಿ ನನ್ನನ್ನು ನಿಮ್ಮ ಬಳಿಗೆ ಬರುವದಕ್ಕೆ
ಅನುಗ್ರಹಿಸುವನೆಂದು ನನಗೆ ನಿರೀಕ್ಷೆ ಉಂಟು. ಆದಕಾರಣ ನನಗೋಸ್ಕರ ಇಳುಕೊಳ್ಳುವ ಸ್ಥಳವನ್ನು
ಸಿದ್ಧಮಾಡು. ೨೩ ಕ್ರಿಸ್ತಯೇಸುವಿನ ನಿಮಿತ್ತವಾಗಿ ನನ್ನ ಜೊತೆ ಸೆರೆಯವನಾದ ಎಪಫ್ರನೂ ನನ್ನ
ಸಹಕಾರಿಗಳಾದ ,ಮಾರ್ಕ ಅರಿಸ್ತಾರ್ಕ ದೇಮ ೨೪ ಮಾರ್ಕ ಅರಿಸ್ತಾರ್ಕ ದೇಮ ಲೂಕರೂ ನಿನ್ನನ್ನು
ವಂದಿಸುತ್ತಾರೆ. ೨೫ ನಮ್ಮ ಕರ್ತನಾದ ಯೇಸು ಕ್ರಿಸ್ತನ ಕೃಪೆಯು ನಿಮ್ಮ ಆತ್ಮದೊಂದಿಗಿರಲಿ.

# ಯೋಹಾನನು ಬರೆದ ಪ್ರಕಟನೆ.

## ಪೀಠಿಕೆ

೧ ೧ ಯೇಸು ಕ್ರಿಸ್ತನ ಪ್ರಕಟನೆಯು ಆತನು ಬೇಗನೆ ಸಂಭವಿಸಬೇಕಾಗಿರುವ ಸಂಗತಿಗಳನ್ನು
ತನ್ನ ದಾಸರಿಗೆ ತೋರಿಸುವದಕ್ಕಾಗಿ ದೇವರಿಂದ ಈ ಪ್ರಕಟನೆಯನ್ನು ಹೊಂದಿದನು.
ಇದಲ್ಲದೆ ಆತನು ತನ್ನ ದೂತರನ್ನು ಕಳುಹಿಸಿ ಅವನ ಮೂಲಕ ಆ ಸಂಗತಿಗಳನ್ನು ತನ್ನ ದಾಸನಾದ
ಯೋಹಾನನಿಗೆ ಸೂಚಿಸಿದನು. ೨ ಯೋಹಾನನು ತಾನು ಕಂಡದ್ದನ್ನೆಲ್ಲಾ ತಿಳಿಸುವವನಾಗಿ
ದೇವರ ವಾಕ್ಯದ ವಿಷಯವಾಗಿಯೂ ಯೇಸು ಕ್ರಿಸ್ತನು ಹೇಳಿದ ಸಾಕ್ಷಿಯ ವಿಷಯವಾಗಿಯೂ
ಸಾಕ್ಷಿ ಕೊಟ್ಟನು. ೩ ಈ ಪ್ರವಾಧನ ವಾಕ್ಯಗಳನ್ನು ಓದುವಂಥವನೂ ಕೇಳುವಂಥವನೂ ಈ
ಪ್ರವಾದನೆಯಲ್ಲಿ ಬರೆದಿರುವ ಮಾತುಗಳನ್ನು ಕೈಕೊಂಡು ನಡೆಯುವಂಥವನೂ ಧನ್ಯನು. ಅವು
ನೆರವೇರುವ ಸಮಯವು ಸಮೀಪವಾಗಿದೆ.

## ಆಸ್ಯಸೀಮೆಯ ಏಳು ಸಭೆಗಳಿಗೆ ಯೋಹಾನನು ಬರೆದ ಪತ್ರಿಕೆ.

೪ ಆಸ್ಯಸೀಮೆಯ ಏಳು ಸಭೆಗಳಿಗೆ ಯೋಹಾನನು ಬರೆಯುವದೇನಂದರೆ – ವರ್ತಮಾನ
ಭೂತ ಭವಿಷ್ಯತ್ಕಾಲಗಳಲ್ಲಿರುವಾತನಿಂದ , ೫ ಮತ್ತು ಆತನ ಸಿಂಹಾಸನದ ಮುಂದಿರುವ ಏಳು
ಆತ್ಮಗಳಿಂದ ಮತ್ತು ನಂಬತಕ್ಕ ಸಾಕ್ಷಿಯು ಸತ್ತವರೊಳಗಿಂದ ಮೊದಲು ಎದ್ದುಬಂದವನೂ ಭೂರಾಜರ
ಒಡೆಯನೂ ಆಗಿರುವ ಯೇಸು ಕ್ರಿಸ್ತನಿಂದ ನಮಗೆ ಕೃಪೆಯು ಶಾಂತಿಯು ಆಗಲಿ.

## ನಮ್ಮನ್ನು ಪ್ರೀತಿಸುವವನೂ ತನ್ನ ರಕ್ತದ ಮೂಲಕ ನಮ್ಮನ್ನು ಪಾಪಗಳಿಂದ ಬಿಡಿಸಿದವನೂ

೬ ನಮ್ಮನ್ನು ರಾಜ್ಯವನ್ನಾಗಿಯೂ ತನ್ನ ತಂದೆಯಾದ ದೇವರಿಗೆ ಯಾಜಕರನ್ನಾಗಿಯೂ
ಮಾಡಿದವನೂ ಆಗಿರುವಾತನಿಗೆ ಯುಗಯುಗಾಂತರಗಳಲ್ಲಿಯೂ ಘನಮಹತ್ವಗಳಿರಲಿ.
ಆಮೆನ. ೭ ಇಗೋ ಮೇಘಗಳೊಂದಿಗೆ ಬರುತ್ತಾನೆ. ಎಲ್ಲರ ಕಣ್ಣುಗಣು ಆತನನ್ನು ಕಾಣುವವು.
ಆತನನ್ನು ಇರಿದವರು ಸಹ ಕಾಣುವರು.ಭೂಮಿಯಲ್ಲಿರುವ ಎಲ್ಲಾ ಕುಲದವರು ಆತನನ್ನು
ನೋಡಿ ಎದೆಬಡಕೊಳ್ಳುವರು ಹೌದು ಹಾಗೆಯೇ ಆಗುವದು. ಆಮೆನ. ೮ ನಾನು ಆದಿಯೂ
ಅಂತವೂ ವರ್ತಮಾನ ಬೂತ ಭವಿಷ್ಯತ್ಕಾಲಗಳಲ್ಲಿರುವವನೂ ಸರ್ವಶಕ್ತನೂ ಆಗಿದ್ದೇನೆ.
ಎಂದು ದೇವರಾದ ಕರ್ತನು ಹೇಳುತ್ತಾನೆ. ೯ ನಿಮ್ಮ ಸಹೋದರನು ಯೇಸುವಿನ ನಿಮಿತ್ತ
ಹಿಂಸೆಯಲ್ಲಿಯೂ ರಾಜ್ಯದಲ್ಲಿಯೂ ತಾಳ್ಮೆಯಲ್ಲಿಯೂ ನಿಮಗ್ಯೊಂದಿಗೆ ಪಾಲುಗಾರನೂ
ಆಗಿರುವ ಯೋಹಾನನೆಂಬ ನಾನು ದೇವರ ವಾಕ್ಯಕ್ಕೋಸ್ಕರವೂ ಯೇಸುವಿನ ವಿಷಯವಾದ
ಸಾಕ್ಷಿಗೋಸ್ಕರವೂ ಪತ್ಮೊಸ ದ್ವೀಪದಲ್ಲಿದ್ದೆನೆ. ೧೦ ನಾನು ಕರ್ತನ ದಿನದಲ್ಲಿ ದೇವರಾತ್ಮವಶನಾಗಿ
ನನ್ನ ಹಿಂದುಗಡೆ ತೂತೂರಿಯ ಶಬ್ದದಂತಿರುವ ಮಹಾ ಶಬ್ದವನ್ನು ಕೇಳಿದೆನು. ೧೧ ಅದು
ನೀನು ನೋಡುವದನ್ನು ಪುಸ್ತಕದಲ್ಲಿ ಬರೆದು ಎಫೆಸ, ಸ್ಮುರ್ನ ಪೆರ್ಗಮ ಥುವತ್ತೈರ ಸಾರ್ದಿಸ
ಫಿಲದೆಲಫಿಯ ಲವೋದಿಕೀಯ ಎಂಬೀ ಏಳು ಪಟ್ಟಣಗಳ ಸಭೆಗಳಿಗೆ ಕಳುಹಿಸಬೇಕೆಂದು
ನುಡಿಯಿತು. ೧೨ ನನ್ನ ಸಂಗಡ ಮಾತಾಡುತ್ತಿದ್ದ ಶಬ್ಧವು ಯಾರದೆಂದು ನೋಡುವದಕ್ಕೆ ಹಿಂದಕ್ಕೆ
ತಿರುಗಿದೆನು. ೧೩ ತಿರುಗಿದಾಗ ಏಳು ಚಿನ್ನದ ದೀಪಸ್ತಂಭಗಳನ್ನೂ ಆ ದೀಪಸ್ತಂಭಗಳ ಮದ್ಯದಲ್ಲಿ
ಮನುಷ್ಯಕುಮಾರನಂತಿರುವವನ್ನೂ ಕಂಡೆನು. ಆತನು ನಿಲುವಂಗಿಯನ್ನು ತೊಟ್ಟು ಚಿನ್ನದ
ಪಟ್ಟಿಯನ್ನು ಎದೆಗೆ ಕಟ್ಟಿಕೊಂಡಿದ್ದನು. ೧೪ ಆತನ ತಲೆಯ ಕೂದಲು ಬಿಳೀ ಉಣ್ಣೆಯಂತೆಯೂ
ಹಿಮದಂತೆಯೂ ಬೆಳ್ಳಗಿತ್ತು.ಆತನ ಕಣ್ಣುಗಳು ಬೆಂಕಿಯ ಉರಿಯಂತೆಯೂ ೧೫ ಆತನ
ಪಾದಗಳು ಕುಲುಮೆಯಲ್ಲಿ ಕಾಯಿಸಿದ ತಾಮ್ರದಂತರಯೂ ಆತನ ಧ್ವನಿಯು ಜಲಪ್ರವಾಹದ
ಘೋಷದಂತೆಯೂ ಇದ್ದವು. ೧೬ ಆತನ ಬಲಗೈಯಲ್ಲಿ ಏಳು ನಕ್ಷತ್ರಗಳಿದ್ದವು. ಆತನ ಬಾಯೊಳಗಿಂದ
ಹದವಾದ ಇಬ್ಬಾಯಿ ಕತ್ತಿಯು ಹೊರಡುತ್ತಿತ್ತು. ಆತನ ಮುಖವು ಮದ್ಯಾಹ್ನದಲ್ಲಿ ಪ್ರಕಾಶಿಸುವ
ಸೂರ್ಯನಂತಿತ್ತು ೧೭ ನಾನು ಆತನನ್ನು ಕಂಡಾಗ ಸತ್ತವನ ಹಾಗೆ ಆತನ ಪಾದಗಳ ಮುಂದೆ
ಬಿದ್ದೆನು. ಆತನು ತನ್ನ ಬಲಗೈಯನ್ನು ಮೇಲಿಟ್ಟು – ಹೆದರಬೇಡ ನಾನು ಮೊದಲನೆಯವನೂ
ಕಡೆಯವನೂ ಸದಾ ಜೀವಿಸುವವನೂ ಆಗಿದ್ದೇನೆ. ೧೮ ಸತ್ತವನಾದೆನು ಮತ್ತು ಇಗೋ
ಯುಗಯುಗಾಂತರಗಳಲ್ಲಿಯೂ ಬದುಕುವವನಾಗಿದ್ದೇನೆ. ಮರಣದ ಮತ್ತು ಪಾತಾಳದ ಬೀಗದ

ಕೈಗಳು ನನ್ನಲ್ಲಿ ಅವೆ. ೧೯ ಆದದರಿಂದ ನೀನು ಕಂಡವುಗಳನ್ನೂ ಈಗ ನಡೆಯುತ್ತಿರುವುಗಳನ್ನೂ
ಬರೆ. ೨೦ ನನ್ನ ಬಲಗೈಯಲ್ಲಿ ನೀನು ಕಂಡ ಏಳು ನಕ್ಷತ್ರಗಳ ಮತ್ತು ಏಳು ಚಿನ್ನದ ದೀಪಸ್ತಂಭಗಳ
ಗೂಢಾರ್ಥವನ್ನು ವಿವರಿಸುತ್ತೇನೆ. – ಆ ಏಳು ನಕ್ಷತ್ರಗಳು ಅಂದರೆ ಏಳು ಸಭೆಗಳು ದೂತರು ಆ
ಏಳು ದೀಪಸ್ತಂಭಗಳು ಅಂದರೆ ಆ ಏಳು ಸಭೆಗಳು.

ಕರ್ತನಾದ ಯೇಸು ಏಳು ಸಭೆಗಳ ದೂತರಿಗೆ ಬರಸಿದ ಪತ್ರಿಕೆಗಳು.

೨ ೧ ಎಫೆಸದಲ್ಲಿರುವ ಸಭೆಯ ದೂತನಿಗೆ ಬರೆ- ಏಳು ನಕ್ಷತ್ರಗಳನ್ನು ಬಲಗೈಯಲ್ಲಿ ಹಿಡುಕೊಂಡು
ಏಳು ಚಿನ್ನದ ದೀಪಸ್ತಂಭಗಳ ಮಧ್ಯದಲ್ಲಿ ತಿರುಗಾಡುವಾತನು ಹೇಳುವದೇನಂದರೆ
೨ ನಿನ್ನ ಕೃತ್ಯಗಳನ್ನೂ ಪ್ರಯಾಸವನ್ನೂ ತಾಳ್ಮೆಯನ್ನೂ ಬಲ್ಲೆನು. ನೀನು ದುಷ್ಟರನ್ನು ಸಹಿಸಲಾರಿ.
ಅಪೋಸ್ತರಲ್ಲದಿದ್ದರೂ ತಮ್ಮನ್ನು ಅಪೊಸ್ತಲರೆಂದು ಹೇಳಿಕೊಳ್ಳುವವರನ್ನು ನೀನು ಪರೀಕ್ಷಿಸಿ
ಅವರನ್ನು ಸುಳ್ಳುಗಾರರೆಂದು ಕಂಡುಕೊಂಡೆ. ೩ ನೀನು ತಾಳ್ಮೆಯುಳ್ಳವನಾಗಿ ನನ್ನ ಹೆಸರಿನ
ನಿಮಿತ್ತ ಬಾಧೆಯನ್ನು ಸೈರಿಸಿಕೊಂಡು ಬೇಸರಗೊಳ್ಳಲಿಲ್ಲ. ಇದನ್ನೆಲ್ಲಾ ಬಲ್ಲೆನು. ೪ ಆದರೆ
ಮೊದಲು ನಿನಗಿದ್ದ ಪ್ರೀತಿಯನ್ನು ನೀನು ಬಿಟ್ಟುಬಿಟ್ಟಿದ್ದೀಯೆಂದು ನಾನು ನಿನ್ನ ಮೇಲೆ ತಪ್ಪು
ಹೊರಿಸಬೇಕಾಗುತ್ತದೆ. ೫ ಆದದರಿಂದ ನೀನು ಎಲ್ಲಿಂದ ಬಿದ್ದಿದ್ದೀಯೋ ಅದನ್ನು ನಿನ್ನ ನೆನಪಿಗೆ
ತಂದುಕೊಂಡು ದೇವರ ಕಡೆಗೆ ತಿರಿಗಿಕೋ. ನೀನು ಮೊದಲು ಮಾಡುತ್ತಿದ್ದ ಕೃತ್ಯಗಳನ್ನು ಮಾಡು.
ನೀನು ದೇವರ ಕಡೆಗೆ ತಿರುಗಿಕೊಳ್ಳದೇ ಹೋದರೆ ನಾನು ಬಂದು ನಿನ್ನ ದೀಪಸ್ತಂಭವನ್ನು ಅದರ
ಸ್ಥಳದಿಂದ ತೆಗೆದು ಹಾಕುವೆನು. ೬ ಆದರೆ ನಿನ್ನಲ್ಲಿ ಒಳ್ಳೆದು ಒಂದುಂಟು ಅದೇನಂದರೆ ನಾನು
ದ್ವೇಷಿಸುವ ನಿಕೊಲಾಯಿತರ ಕೃತ್ಯಗಳನ್ನು ನೀನು ಸಹ ದ್ವೇಷಿಸುತ್ತಿ. ೭ ದೇವರಾತ್ಮನು ಸಭೆಗಳಿಗೆ
ಹೇಳುವದನ್ನು ಕಿವಿಯುಳ್ಳವನು ಕೇಳಲಿ. ಯಾವನು ಜಯ ಹೊಂದುತ್ತಾನೊ ಅವನಿಗೆ ದೇವರ
ಪರದೈಸಿನಲ್ಲಿರುವ ಜೀವದಾಯಕ ವೃಕ್ಷದ ಹಣ್ಣನ್ನು ತನ್ನುವದಕ್ಕೆ ಕೊಡುವನು.
೮ ಸ್ಮುರ್ನದಲ್ಲಿರುವ ಸಭೆಯ ದೂತನಿಗೆ ಬರೆ - ೯ ಸತ್ತವನಾಗಿದ್ದು ಜೀವಿತನಾಗಿ ಬಂದ
ಆದ್ಯಂತನು ಹೇಳುವದೇನಂದರೆ – ನಾನು ನಿನ್ನ ಸಂಕಟವನ್ನೂ ನಿನ್ನ ಬಡತನವನ್ನೂ ಬಲ್ಲೆನು.
ಆದರೂ ನೀನು ಐಶ್ವರ್ಯವಂತನೇ. ಇದಲ್ಲದೆ ತಮ್ಮನ್ನು ಯಹೂದ್ಯರೆಂದು ಹೇಳಿಕೊಳ್ಳವವರು
ನಿನ್ನ ವಿಷಯವಾಗಿ ದೂಷಿಸುವದನ್ನು ಬಲ್ಲೆನು. ಅವರು ಯಹೂದ್ಯರಲ್ಲ. ಸೈತಾನನ
ಸಮಾಜದವರಾಗಿದ್ದಾರೆ. ೧೦ ನಿನಗೆ ಸಂಭವಿಸುವದಕ್ಕಿರುವ ಬಾಧೆಗಳಿಗೆ ಹೆದರಬೇಡ. ಇಗೋ
ನೀವು ದುಷ್ಪ್ರೇರಣೆಗೆ ಒಳಗಾಗುವಂತೆ ಸೈತಾನನು ನಿಮ್ಮಲ್ಲಿ ಕೆಲವರನ್ನು ಸೆರೆಮನೆಯೊಳಗೆ
ಹಾಕುವದಕ್ಕಿದ್ದಾನೆ. ಮತ್ತು ಹತ್ತು ದಿವಸಗಳ ತನಕ ನಿಮಗೆ ಸಂಕಟವಿರುವದು. ನೀನು
ಸಾಯಬೇಕಾದರೂ ನಂಬಿಗಸ್ತನಾಗಿರು. ನಾನು ನಿನಗೆ ಜೀವವೆಂಬ ಜಯಮಾಲೆಯನ್ನು
ಕೊಡುವೆನು. ೧೧ ದೇವರಾತ್ಮನು ಸಭೆಗಳಿಗೆ ಹೇಳುವದನ್ನು ಕಿವಿಯುಳ್ಳವನು ಕೇಳಲಿ.
ಜಯಹೊಂದುವವನಿಗೆ ಎರಡನೆ ಮರಣದಿಂದ ಕೇಡಾಗುವದೇ ಇಲ್ಲ.
೧೨ ಪೆರ್ಗಮದಲ್ಲಿರುವ ಸಭೆಯ ದೂತನಿಗೆ ಬರೆ. ೧೩ ಹದವಾದ ಇಬ್ಬಾಯಿ ಕತ್ತಿಯನ್ನು
ಹಿಡಿದಾತನು ಹೇಳುವದೇನಂದರೆ- ನೀನು ವಾಸ ಮಾಡುವ ಸ್ಥಳವನ್ನು ಬಲ್ಲೆನು. ಅದು ಸೈತಾನನ
ಸಿಂಹಾಸನವಿರುವ ಸ್ಥಳವಾಗಿದೆ. ನೀನು ನನ್ನ ಹೆಸರನ್ನು ಬಿಡದೇ ಹಿಡುಕೊಂಡಿದ್ದೀ ನೀನು
ಇರುವ ಸೈತಾನನ ನಿವಾಸದಲ್ಲಿ ನನಗೆ ನಂಬಿಗಸ್ತನೂ ಸಾಕ್ಷಿಯೂ ಆದ ಅಂತಿಪನು ಕೊಲ್ಲಲ್ಪಟ್ಟ
ದಿನಗಳಲ್ಲಿಯಾದರೂ ನನ್ನಲ್ಲಿಟ್ಟಿರುವ ನಂಬಿಕೆಯನ್ನು ನೀನು ಮರೆಮಾಡಲಿಲ್ಲ. ೧೪ ಆದರೂ
ಕೆಲವು ವಿಷಯಗಳಲ್ಲಿ ನಿನ್ನಮೇಲೆ ತಪ್ಪು ಹೊರಿಸಬೇಕಾಗುತ್ತದೆ. ವಿಗ್ರಹಕ್ಕೆ ನೈವೇದ್ಯ
ಮಾಡಿದ ಪದಾರ್ಥಗಳನ್ನು ತಿನ್ನುವದರಲ್ಲಿಯೂ ಜಾರತ್ವ ಮಾಡುವದರಲ್ಲಿಯೂ ಇಸ್ರಾಯೇಲ್ಯರು
ಮುಗ್ಗರಿಸಿ ಬೀಳಬೇಕೆಂದು ಬಿಳಾಮನು ಬಾಲಾಕನಿಗೆ ಹೇಳಿದ ದುಭೋರ್ಧನೆಯನ್ನು
ಅವಲಂಬಿಸಿರುವವರು ನಿನ್ನಲ್ಲಿ ಇದ್ದಾರೆ. ೧೫ ಹಾಗೇಯೆ ನಿಕೊಲಾಯಿತರ ಬೋಧನೆಯನ್ನು
ಅವಲಂಬಿಸಿರುವವರೂ ನಿಮ್ಮಲ್ಲಿದ್ದಾರೆ. ೧೬ ಆದದರಿಂದ ದೇವರ ಕಡೆಗೆ ತಿರಿಗಿಕೋ,
ತಿರಿಗಿಕೊಳ್ಳದಿದ್ದರೆ ನಾನು ಬೇಗನೇ ನಿನ್ನ ಬಳಿಗೆ ಬಂದು ನನ್ನ ಬಾಯಿ ಕತ್ತಿಯಿಂದ ಅವರ
ಮೇಲೆ ಯುದ್ದ ಮಾಡುವೆನು. ೧೭ ದೇವರಾತ್ಮನು ಸಭೆಗಳಿಗೆ ಹೇಳುವದನ್ನು ಕಿವಿಯುಳ್ಳವನು
ಕೇಳಲಿ. ಯಾವನು ಜಯಹೊಂದುತ್ತಾನೋ ಅವನಿಗೆ ಬಚ್ಚಿಟ್ಟಿರುವ ಮನ್ನವೆಂಬ ಆಹಾರವನ್ನು
ಕೊಡುವೆನು. ಇದಲಚಲದೆ ಅವನಿಗೆ ಬಿಳೀ ಕಲ್ಲನ್ನೂ ಆ ಕಲ್ಲಿನ ಮೇಲೆ ಕೆತ್ತಿದ ಹೊಸ
ಹೆಸರನ್ನೂ ಕೊಡುವೆನು. ಆಹೆಸರನ್ನು ಹೊಂದಿದವನಿಗೇ ಹೊರತು ಇನ್ನಾರಿಗೂ ತಿಳಿಯದು.

೧೮ ಥುವತ್ತೈರದಲ್ಲಿರುವ ಸಭೆಯ ದೂತನಿಗೆ ಬರೆ. ಬೆಂಕಿಯ ಉರಿಯಂತಿರುವ ಕಣ್ಣುಗಳೂ
ತಾಮ್ರದಂತಿರುವ ಪಾದಗಳೂ ಉಳ್ಳ ದೇವಕುಮಾರನು ಹೇಳುವದೇನಂದರೆ- ೧೯ ನಿನ್ನ ಕೃತ್ಯಗಳನ್ನೂ
ಪ್ರೀತಿಯನ್ನೂ ನಂಬಿಕೆಯನ್ನೂ ಪರೋಪಕಾರವನ್ನೂ, ತಾಳ್ಮೆಯನ್ನೂ ಬಲ್ಲೆನು. ಇದಲ್ಲದೆ ನಿನ್ನ
ಕಡೇ ಕೃತ್ಯಗಳು ಮೊದಲಿನ ಕೃತ್ಯಗಳಿಗಿಂತ ಹೆಚ್ಚಾದವುಗಳೆಂದು ಬಲ್ಲೆನು. ೨೦ ಆದರೆ ನಿನ್ನ
ಮೇಲೆ ಒಂದು ತಪ್ಪುಹೊರಿಸ ಬೇಕಾಗುತ್ತದೆ. ಅದೇನಂದರೆ ಯೆಜೆಬೇಲೆಂಬ ಆ ಹೆಂಗಸು
ತನ್ನನ್ನು ಪ್ರವಾದಿವಿಯೆಂದು ಹೇಳಿಕೊಂಡು ಜಾರತ್ವಮಾಡಬಹುದೆಂದೂ ವಿಗ್ರಹಗಳಿಗೆ ನೈವೇದ್ಯ
ಮಾಡಿದ ಪದಾರ್ಥಗಳನ್ನು ತಿನ್ನಬಹುದೆಂದೂ ನನ್ನ ದಾಸರಿಗೆ ಬೋಧಿಸುತ್ತಾ ಅವರನ್ನು ತಪ್ಪಾದ
ಮಾರ್ಗದಲ್ಲಿ ಸೇರಿಸುತ್ತಿರುವಲ್ಲಿ ನೀನು ಅವಳನ್ನು ತಡೆಯದೆ ಬಿಟ್ಟೀರುವದೇ. ೨೧ ದೇವರ
ಕಡೆಗೆ ತಿರಿಗಿಕೊಳ್ಳುವದಕ್ಕೆ ನಾನು ಅವಳಿಗೆ ಸಮಯವನ್ನು ಕೊಟ್ಟೆನು.ಆದರೆ ದೇವರ
ಕಡೆಗೆ ತಿರಿಗಿಕೊಂಡು ತನ್ನ ಜಾರತ್ವವನ್ನು ಬಿಟ್ಟು ಬಿಡುವದಕ್ಕೆ ಅವಳಿಗೆ ಇಷ್ಟವಿಲ್ಲ. ೨೨ ಇಗೋ
ಅವಳು ಹಾಸಿಗೆಯ ಮೇಲೆ ಬಿದ್ದುಕೊಂಡಿರುವಂತೆ ಮಾಡುವೆನುಮತ್ತುಅವಳೊಂದಿಗೆ
ವ್ಯಭಿಚಾರ ಮಾಡುವವರು ತಮ್ಮ ಮನಸ್ಸನ್ನು ದೇವರ ಕಡೆಗೆ ತಿರಿಗಿಸಿಕೊಂಡು ಅವಳ
ಕೃತ್ಯಗಳನ್ನು ಬಿಟ್ಟುಬಿಡದೇ ಹೋರೆ ಮಹಾ ಸಂಕಟದಲ್ಲಿ ಬೀಳುವಂತೆ ಮಾಡುವೆನು.
೨೩ ಅವಳ ಮಕ್ಕಳನ್ನು ಕೊಂದೇ ಕೊಲ್ಲುವೆನು. ಆಗ ನಾನು ಮನುಷ್ಯರ ಅಂತರಿಂದ್ರೀಯವನ್ನೂ
ಹೃದಯವನ್ನೂ ಪರೀಕ್ಷಿಸುವವನಾದ್ದೇನೆಂಬದು ಎಲ್ಲಾ ಸಭೆಗಳಿಗೆ ಗೊತ್ತಾಗುವದು. ನಿಮ್ಮಲ್ಲಿ
ಪ್ರತಿಯೊಬ್ಬನಿಗೆ ಅವನವನ ಕೃತ್ಯಗಳಿಗೆ ತಕ್ಕ ಹಾಗೆ ಪ್ರತಿಫಲ ಕೊಡುವೆನು. ೨೪ ಆದರೆ
ಥುವತ್ತೈರದಲ್ಲಿರುವ ಉಳಿದವರಿಗೆ ಅಂದರೆ ಅಗಾಧ ಭೋದೆಯೆಂದು ಹೇಳಿಸಿಕೊಂಡಿರುವ
ಸೈತಾನನಿಂದ ಪ್ರೇರಿತವಾದ ದುಭೋ೯ದನೆಯನ್ನು ನಿಮ್ಮಲ್ಲಿ ಯಾರಾರು ತಿಳಿಯದೆಯೂ
ಅವಲಂಬಿಸದೇಯೂ ಇರುತ್ತಾರೋ ಅವರಿಗೆ ಹೇಳುವದೇವಂದರೆ- ೨೫ ನಿಮಗಿರುವದನ್ನು ನಾನು
ಬರುವ ತನಕ ಬಿಗಿಯಾಗಿ ಹಿಡುಕೊಂಡಿರಬೇಕೆಂಬ ಅಪ್ಪಣೆಯನ್ನೇ ಹೊರತು ಮತ್ತೊಂದು
ಬಾರವನ್ನು ನಿಮ್ಮ ಮೇಲೆ ಹಾಕುವದಿಲ್ಲವೆಂಬದೇ. ೨೬ ಯಾವನು ಜಯಶಾಲಿಯಾಗಿದ್ದು ನನಗೆ
ಮೆಚ್ಚಿಕೆಯಾದ ಕೃತ್ಯಗಳನ್ನು ಕಡೇ ವರೆಗೂ ನಡೆಸುತ್ತಾನೋ ಅವನಿಗೆ ನಾನು ನನ್ನ ತಂದೆಯಿಂದ
ಹೊಂದಿದ ಅಧಿಕಾರದಂತೆ ಜನಾಂಗಗಳ ಮೇಲೆ ಅಧಿಕಾರವನ್ನು ಕೊಡುವೆನು. ೨೭ ಅವನು
ಕಬ್ಬಿಣದ ಕೋಲಿನಿಂದ ಅವರನ್ನು ಆಳುವನು. ಮಣ್ಣಿನ ಮಡಕೆಗಳು ಒಡೆಯುವಂತೆ ಅವರ ನಲ
ಮುರಿದು ಹೋಗುವವು. ೨೮ ಇದಲ್ಲದೆ ಉದಯ ಸೂಚಕ ನಕ್ಷತ್ರವನ್ನು ಅವನಿಗೆ ಕೊಡುವೆನು.
೨೯ ದೇವರಾತ್ಮನು ಸಭೆಗಳಿಗೆ ಹೇಳುವದನ್ನು ಕಿವಿಯುಳ್ಳವನು ಕೇಳಲಿ

ಸಾರ್ದಿಸಿನಲ್ಲಿರುವ ಸಭೆಯ ದೂತನಿಗೆ ಬರೆ. –

೩ ೧ ಸಭೆಯ ಏಳು ಆತ್ಮಗಳೂ ಏಳು ನಕ್ಷತ್ರಗಳೂ ಉಳ್ಳತನು ಹೇಳುವದೇನಂದರೆ- ನಿನ್ನ
ಕೃತ್ಯಗಳನ್ನು ಬಲ್ಲೆನು. ಜೀವಿಸುವವನು ಎಂದು ಹೆಸರು ನಿನಗಿದ್ದರೂ ಸತ್ತವನಾಗಿದ್ದೀ
ಎಂಬುದನ್ನು ಬಲ್ಲೆನು.
೨ ಎಚ್ಚರವಾಗಿರು. ಸಾಯುವ ಹಾಗಿದ್ದ ಉಳಿದವುಗಳನ್ನು ದೃಡಪಡಿಸು. ನನ್ನ ದೇವರ ಮುಂದೆ
ನಿನ್ನ ಕೃತ್ಯಗಳಲ್ಲಿ ಒಂದಾದರೂ ಸಮಪೂರ್ಣವಾದದ್ದೆಂದು ನಾನು ಕಾಣಲಿಲ್ಲ. ೩ ಆದದರಿಂದ
ನೀನು ಹೊಂದಿದ ಉಪದೇಶವನ್ನೂ ಅದನ್ನು ಕೇಳಿದ ರೀತಿಯನ್ನೂ ನೆನಪಿಗೆ ತಂದುಕೊಂಡು
ಅದನ್ನು ಕಾಪಾಡಿಕೋಮತ್ತು ದೇವರ ಕಡೆಗೆ ತಿರಿಗಿಕೊ. ನೀನು ಎಚ್ಚರವಾಗಿಲ್ಲದಿದ್ದರೆ ಕಳ್ಳನು
ಬರುವಂತೆ ಬರುವೆನು. ನಾನು ಯಾವ ಗಳಿಗೆಯಲ್ಲಿ ನಿಮ್ಮ ಮೇಲೆ ಬರುವೆನೋ ಅದು
ನಿನಗೆ ತಿಳಿಯುವದೇ ಇಲ್ಲ. ೪ ಆದರೂ ತಮ್ಮ ವಸ್ತ್ರಗಳನ್ನು ಮೈಲಿಗೆ ಮಾಡಿಕೊಳ್ಳದಿರುವ ಸ್ವಲ್ಪ
ಜನರು ಸಾರ್ದಿಸಿನೊಳಗೆ ನಿನ್ನಲ್ಲಿದ್ದಾರೆ. ಅವರು ಯೋಗ್ಯರಾಗಿರುವದರಿಂದ ಶೆಭ್ರವಸ್ತ್ರಗಳನ್ನು
ಧರಿಸಿಕೊಂಡು ನನ್ನ ಜೊತೆಯಲ್ಲಿ ನಡೆಯುವರು. ೫ ಜಯಶಾಲಿಗೆ ಹೀಗೆ ಶುಬ್ರವಸ್ತ್ರಗಳನ್ನು
ಹೊದಿಸುವರು. ಜೀವಬಾಧ್ಯರ ಪಟ್ಟಿಯಿಂದ ಅವನ ಹೆಸರನ್ನು ನಾನು ಅಳಿಸಿಬಿಡದೇಅವನು
ನನ್ನವನೆಂದು ನನ್ನ ತಂದೆಯ ಮುಂದೆಯೂ ಆತನ ದೂತರ ಮುಂದೆಯೂ ಒಪ್ಪುವೆನು.
೬ ದೇವರಾತ್ಮನು ಸಭೆಗಳಿಗೆ ಹೇಳುವದನ್ನು ಕಿವಿಯುಳ್ಳವನು ಕೇಳಲಿ
೭ ಫಿಲದಲ್ಫಿಯದಲ್ಲಿರುವ ಸಭೆಯ ದೂತನಿಗೆ ಬರೆ- ಪರಿಶುದ್ದನೂ ಸತ್ಯವಂತನೂ ದಾವೀದವ
ಬೀಗದಕೈಯುಳ್ಳವನೂ ಯಾರೂ ಮುಚ್ಚಕೂಡದಂತೆ ತೆರೆಯುವವನೂ, ಯಾರೂ ತೆರೆಯದಂತೆ
ಮುಚ್ಚುವವನೂ ಆಗಿರುವಾತನು ಹೇಳುವದೇನಂದರೆ- ೮ ನಿನ್ನ ಕೃತ್ಯಗಳನ್ನು ಬಲ್ಲೆನು. ನಿನಗಿರುವ
ಶಕ್ತಿ ಕೊಂಚವಾಗಿದ್ದರೂ ನೀನು ನನಗೆ ಸೇರಿದವನಲ್ಲವೆಂದು ಹೇಳದೆ ನನ್ನ ವಾಕ್ಯವನ್ನು

ಕಾಪಾಡಿದ್ದರಿಂದ ಇಗೋ ನಿನ್ನೆದುರಿನಲ್ಲಿ ಒಂದು ಬಗಿಲನ್ನು ತೆರೆದಿಟ್ಟಿದ್ದೇನೆ. ಯಾರೂ
ಅದನ್ನು ಮುಚ್ಚಲಾರರು. ೯ ನಾನು ನಿನಗೆ ಅನುಗ್ರಹಿಸುವದೇನಂದರೆ ತಾವು ಯೆಹೂದ್ಯರೆಂದು
ಸುಳ್ಳಾಗಿ ಕೊಚ್ಚಿಕೊಳ್ಳುವ ಸೈತಾನನ ಸಮಾಜದವರಲ್ಲಿ ಕೆಲವರು ಬಂದು ನಿನ್ನ ಪಾದಗಳ ಮುಂದೆ
ಬೀಳುವಂತೆಯೂ ನಿನ್ನನ್ನು ನಾನು ಪ್ರೀತಿಸಿದ್ದನ್ನು ತಿಳುಕೊಳ್ಳುವಂತೆಯೂ ಮಾಡುವೆನು.
೧೦ ನೀನು ನನ್ನ ಸಹನವಾಕ್ಯವನ್ನು ಕಾಪಾಡಿದ್ದರಿಂದ ಭೂನಿವಸಿಗಳನ್ನು ಪರೀಕ್ಷಿಸುವದಕ್ಕಾಗಿ
ಲೋಕದ ಮೇಲೆಲ್ಲಾ ಬರುವದಕ್ಕಿರುವ ಶೋಧನೆಯ ಸಮಯದಲ್ಲಿ ನಿನ್ನನ್ನು ತಪ್ಪಿಸಿ
ಕಾಪಾಡುವೆನು. ೧೧ ಬೇಗನೇ ಬರುತ್ತೇನೆ, ನಿನಗಿರುವದನ್ನು ಹಿಡಿದುಕೊಂಡಿರು. ನಿನ್ನ
ಜಯಮಾಲೆಯನ್ನು ಯಾರೂ ಅಪಹರಿಸಬಾರದು. ೧೨ ಯಾವನು ಜಯಹೊಂದುತ್ತಾನೋ
ಅವನನ್ನು ನನ್ನ ದೇವರ ಆಲಯದಲ್ಲಿ ಸ್ತಂಭವಾಗಿ ನಿಲ್ಲಿಸುವೆನು. ಅವನು ಇನ್ನು ಮುಂದೆ
ಅದರೊಳಗಿಂದ ಹೋಗುವದೇ ಇಲ್ಲ. ಇದಲ್ಲದೆ ನನ್ನ ದೇವರ ಹೆಸರನ್ನು ನನ್ನ ದೇವರ ಬಳಿಯಿಂದ
ಪರಲೋಕದೊಳಗಿಂದ ಇಳಿದು ಬರುವ ಹೊಸ ಯೆರೂಸಲೇಮ ಪಟ್ಟಣವೆಂಬ ನನ್ನ ದೇವರ
ಪಟ್ಟಣದ ಹೆಸರನ್ನೂ ನನ್ನ ಹೊಸ ಹೆಸರನ್ನೂ ಅವನ ಮೇಲೆ ಬರೆಯುವೆನು.
೧೩ ದೇವರಾತ್ಮನು ಸಭೆಗಳಿಗೆ ಹೇಳುವದನ್ನು ಕಿವಿಯುಳ್ಳವನು ಕೇಳಲಿ
೧೪ ಲವೋದಿಕೀಯದಲ್ಲಿರುವ ಸಭೆಯ ದೂತನಿಗೆ ಬರೆ.- ಆಮೆನ ಎಂಬಾತನು
ಅಂದರೆ ನಂಬತಕ್ಕ ಸತ್ಯ ಸಾಕ್ಷಿಯೂ ದೇವರ ಸೃಷ್ಟಿಗೆ ಮೂಲನೂ ಆಗಿರುವಾತನು
ಹೇಳುವದೇನಂದರೆ- ೧೫ ನಿನ್ನ ಕೃತ್ಯಗಳನ್ನು ಬಲ್ಲೆನು. ನೀನು ತಣ್ಣಗೂ ಅಲ್ಲ ಬೆಚ್ಚಗೂ ಅಲ್ಲ ನೀನು
ತಣ್ಣಗಾಗಲಿ ಬೆಚ್ಚಗಾಗಲಿ ಇದ್ದರೆ ಒಳ್ಳೇದಾಗಿತ್ತು. ೧೬ ನೀನು ಬೆಚ್ಚಗೂ ಇಲ್ಲದೆ ತಣ್ಣಗೂ ಇಲ್ಲದೆ
ಉಗುರು ಬೆಚ್ಚಗಿರುವದರಿಂದ ನಿನ್ನನ್ನು ನನ್ನ ಬಾಯೊಳಗಿಂದ ಕಾರುವೆನು. ೧೭ ನೀನು ನಿನ್ನ
ವಿಷಯದಲ್ಲಿ ನಾಣು ಐಶ್ವರ್ಯವಂತನು ಸಂಪನ್ನನು ಒಂದರಲ್ಲಿಯೂ ಕೊರತೆಯಿಲ್ಲದವನು ಎಂದು
ಹೇಳಿಕೊಳ್ಳುತ್ತೀ. ಆದರೆ ನೀನು ಕೇವಲ ದುರವಸ್ಥೆಯಲ್ಲಿ ಬಿದ್ದಿರುವಂಥವನೂ ದೌರ್ಭಾಗ್ಯನು
ದರಿದ್ರನು ಕುರುಡನು ಬಟ್ಟೆಯಿಲ್ಲದವನೂ ಆಗಿರುವದನ್ನು ತಿಳಿಯದೇ ಇದ್ದೀ ೧೮ ನೀನು
ಐಶ್ವರ್ಯವಂತನಾಗುವಂತೆ ಬೆಂಕಿಯಲ್ಲಿ ಪುಟಾಹಾಕಿದ ಚಿನ್ನವನ್ನೂ ಲಜ್ಜಾಸ್ಪದವಾದ ನಿನ್ನ
ಬೆತ್ತಲೆತನ ಕಾಣಿಸದಂತೆ ಹೊದ್ದುಕೊಳ್ಳುವದಕ್ಕಾಗಿ ಬಿಳೀ ವಸ್ತ್ರಗಳನ್ನು ಕಣ್ಣು ಕಾಣುವಂತೆ ನಿನ್ನ
ಕಣ್ಣುಗಳಿಗೆ ಹಚ್ಚುವದಕ್ಕಾಗಿ ಅಂಜನವನ್ನೂ ನನ್ನಿಂದ ಕೊಂಡುಕೊಳ್ಳಬೇಕೆಂದು ನಿನಗೆ ಬುದ್ಧಿ
ಹೇಳುತ್ತೇನೆ. ೧೯ ನಾನು ಯಾರಾರನ್ನು ಪ್ರೀತಿಸುತ್ತೇನೋ ಅವರನ್ನು ಗದರಿಸುತ್ತೇನೆ. ಮತ್ತು
ಶಿಕ್ಷಿಸುತ್ತೇನೆ. ಆದದರಿಂದ ನೀನು ಆಸಕ್ತನಾಗಿರು. ದೇವರ ಕಡೆಗೆ ತಿರಿಗಿಕೋ. ೨೦ ಇಗೋ
ಬಾಗಲ್ಲಿ ನಿಂತುಕೊಂಡು ತಟ್ಟುತ್ತಾ ಇದ್ದೇನೆ. ಯಾವನಾದರೂ ನನ್ನ ಶಬ್ದವನ್ನು ಕೇಳಿ ಬಾಗಿಲನ್ನು
ತೆರೆದರೆ, ನಾನು ಒಳಗೆ ಬಂದು ಅವನ ಸಂಗಡ ಊಟ ಮಾಡುವೆನು. ಅವನು ನನ್ನ ಸಂಗಡ ಊಟ
ಮಾಡುವನು. ೨೧ ನಾನು ಜಯಹೊಂದಿ ನನ್ನ ತಂದೆಯೊಡನೆ ಸಿಂಹಾಸನದಲ್ಲಿ ಕೂತುಕೊಂಡೆನು.
ಹಾಗೇಯೆ ಜಯಹೊಂದುವವನನ್ನು ನನ್ನೊಡನೆ ಸಿಂಹಾಸನದಲ್ಲಿ ಕೂತುಕೊಳ್ಳುವಂತೆ
ಮಾಡುವೆನು. ೨೨ ದೇವರಾತ್ಮನು ಸಭೆಗಳಿಗೆ ಹೇಳುವದನ್ನು ಕಿವಿಯುಳ್ಳವನು ಕೇಳಲಿ

## ಪರಲೋಕದಲ್ಲಿರುವ ದೇವರ ಸಾನಿಧ್ಯವನ್ನು ಕುರಿತದ್ದು.

೪ ೧ ಇವುಗಳಾದ ಮೇಲೆ ನಾನು ನೋಡಿದಾಗ ಪರಲೋಕದಲ್ಲಿ ತೆರೆದಿದ್ದ ಬಾಗಿಲು
ಕಾಣಿಸಿತು. ಮತ್ತು ನನ್ನ ಸಂಗಡ ತೂತುರಿಯು ಮಾತಾಡುತ್ತದೋ ಎಂಬಂತೆ ನಾನು
ಮೊದಲು ಕೇಳಿದ್ದ ವಾಣಿಯು ಕೇಳಿಸಿತು. ಇಲ್ಲಿಗೆ ಏರಿ ಬಾ ಮುಂದೆ ಆಗಬೇಕಾದವುಗಳನ್ನು
ನಿನಗೆ ತೋರಿಸುವೆನು. ಎಂದು ಹೇಳಿತು. ಕೂಡಲೆ ದೇವರಾತ್ಮವಶನಾದೆನು. ೨ ಆಗ
ಇಗೋ ಪರಲೋಕದಲ್ಲಿ ಒಂದು ಸಿಂಹಾಸನವಿತ್ತು. ಸಿಂಹಾಸನದ ಮೇಲೆ ಒಬ್ಬನು ಕೂತಿದ್ದನು.
೩ ಕೂತಿದ್ದವನ ಕಣ್ಣಿಗೆ ಸೂರ್ಯಕಾಂತ ಪದ್ಮರಾಗ ಮಣಿಗಳಂತೆ ಕಾಣುತ್ತಿದ್ದನು. ಸಿಂಹಾಸನದ
ಸುತ್ತಲೂ ಪಚ್ಚೆಯಂತೆ ತೋರುತ್ತಿದ್ದ ಮುಗಿಲುಬಿಲ್ಲು ಇತ್ತು. ೪ ಇದಲ್ಲದೆ ಸಿಂಹಾಸನದ ಸುತ್ತಲು
ಇಪ್ಪತ್ತು ನಾಲ್ಕು ಸಿಂಹಾಸನಗಳಿದ್ದವು. ಆ ಸಿಂಹಾಸನಗಳ ಮೇಲೆ ಶುಭ್ರವಸ್ತ್ರ ಧರಿಸಿಕೊಂಡಿದ್ದ
ಇಪ್ಪತ್ತು ನಾಲ್ಕು ಮಂದಿ ಹಿರಿಯರು ಕುತಿದ್ದರು. ಅವರ ತಲೆಗಳ ಮೇಲೆ ಚಿನ್ನದ ಕಿರೀಟಗಳಿದ್ದವು
೫ ಸಿಂಹಾಸನದೊಳಗಿಂದ ಮಿಂಚುಗಳು ವಾಣಿಗಳು ಗುಡುಡುಗಳೂ ಹೊರಡುತ್ತವೆ. ಅದರ ಮುಂದೆ
ದೇವರ ಏಳು ಆತ್ಮಗಳನ್ನು ಸೂಚಿಸುವ ಏಳು ದೀಪಗಳು ಉರಿಯುತ್ತಿದ್ದವು. ೬ ಇದಲ್ಲದೆ ಸಿಂಹಾಸನ
ಮುಂದೆ ಸ್ಪಟಿಕಕ್ಕೆ ಸಮಾನವಾದ ಗಾಜಿನ ಸಮುದ್ರವಿದ್ದ ಹಾಗೆ ತೋಚಿತು. ಸಿಂಹಾಸನದ
ಮಧ್ಯದಲ್ಲಿ ಅದರ ನಾಲ್ಕು ಕಡೆಗಳಲ್ಲಿ ನಾಲ್ಕು ಜೀವಿಗಳಿದ್ದವು. ಅವುಗಳಿಗೆ ಹಿಂದೆ ಮುಂದೆ

ತುಂಬಾ ಕಣ್ಣುಗಳಿದ್ದವು. ೭ ಮೊದಲನೆಯ ಜೀವಿಯು ಸಿಂಹದತ್ತಿತ್ತು ಎರಡನೆಯ ಜೀವಿಯು
ಹೋರಿಯಂತಿತ್ತು. ಮೂರನೆಯ ಜೀವಿಯ ಮುಖವು ಮನುಷ್ಯನ ಮುಖದಂತಿತ್ತು. ನಾಲ್ಕನೆಯ
ಜೀವಿಯು ಹಾರುವ ಗರುಡ ಪಕ್ಷಿಯಂತಿತ್ತು. ೮ ಆ ನಾಲ್ಕು ಜೀವಿಗಳೊಳಗೆ ಒಂದೊಂದಕ್ಕೆ
ಆರಾರು ರೆಕ್ಕೆಗಳಿದ್ದವು ಆ ಜೀವಿಗಳಿಗೆ ಸುತ್ತಲೂ ಒಳಗೂ ತುಂಬಾ ಕಣ್ಣುಗಳಿದ್ದವು. ಆ
ಜೀವಿಗಳು ಹಗಲಿರುಳು ವಿಶ್ರಮಿಸಿಕೊಳ್ಳದೆ ದೇವರಾದ ಕರ್ತನು ಪರಿಶುದ್ಧನು, ಪರಿಶುದ್ಧನು,
ಪರಿಶುದ್ಧನು ; ಆತನು ಸರ್ವಶಕ್ತನು ವರ್ತಮಾನ ಭೂತ ಭವಿಷ್ಯತ್ಕಾಲಗಳಲ್ಲಿರುವಂಥವನು ಎಂದು
ಹೇಳುತ್ತವೆ. ೯ ಯುಗಯುಗಾಂತರಗಳಲ್ಲಿಯೂ ದೀವಿಸುವವನಾಗಿ ಸಿಂಹಾಸನದ ಮೇಲೆ
ಕೂತಿರುವಾತನಿಗೆ ಆ ನಾಲ್ಕು ಜೀವಿಗಳು ಪ್ರಭಾವ ಮಾನ ಕೃತಜ್ಞತಾಸ್ತುತಿಗಳನ್ನು ಸಲ್ಲಿಸುವಾಗ್ಗೆ
೧೦ ಆ ಇಪ್ಪತ್ತು ನಾಲ್ಕು ಮಂದಿ ಹಿರಿಯರು ಸಿಂಹಾಸನ ಮೇಲೆ ಕೂತಾತನ ಪಾದಕ್ಕೆ ಬಿದ್ದು ತಮ್ಮ
ಕಿರೀಟಗಳನ್ನು ಸಿಂಹಾಸನದ ಮುಂದೆ ಹಾಕಿ - ೧೧ ಕರ್ತನೇ ನಮ್ಮ ದೇವರೇ ನೀನು ಪ್ರಭಾವ
ಮಾನ ಬಲಗಳನ್ನು ಹೊಂದುವಕ್ಕೆ ಯೋಗ್ಯನಾಗಿದ್ದೀ; ಸಮಸ್ತವನ್ನು ಸೃಷ್ಟಿಸಿದಾತನು ನೀನೇ.
ಎಲ್ಲವೂ ನಿನ್ನ ಚಿತ್ತದಿಂದಲೇ ಇದ್ದವು. ನಿನ್ನ ಚಿತ್ತದಿಂದಲೇ ನಿರ್ಮಿತವಾದವು. ಎಂದು ಹೇಳುತ್ತಾ
ಯುಗಯುಗಾಂತರಗಳಲ್ಲಿಯೂ ಜೀವಿಸುವಾತನನ್ನು ಆರಾಧಿಸುತ್ತಾರೆ.

ಸುರುಳಿಯ ಏಳು ಮುದ್ರೆಗಳನ್ನು ಕುರಿತಿದ್ದು.

೫ ೧ ಸಿಂಹಾಸನದ ಮೇಲೆ ಕುಳಿತಿದ್ದಾತನ ಬಲಗೈಯಲ್ಲಿ ಒಂದು ಸುರುಳಿಯನ್ನು ಕಂಡೆನು. ಅದರ
ಎರಡು ಪಕ್ಕಗಳಲ್ಲಿಯೂ ಬರೆದಿತ್ತು. ಅದು ಏಳು ಮುದ್ರೆಗಳಿಂದ ಮುದ್ರಿತವಾಗಿತ್ತು. ೨ ಇದಲ್ಲದೆ
ಬಲಿಷ್ಠವಾದ ಒಬ್ಬ ದೇವದೂತನು ಈ ಸುರುಳಿಯನ್ನು ಬಿಚ್ಚುವದಕ್ಕೂ ಇದರ ಮುದ್ರೆಗಳನ್ನು
ಒಡೆಯುವದಕ್ಕೂ ಯಾವನು ಯೋಗ್ಯನು ಎಂದು ಮಹಾ ಶಬ್ದದಿಂದ ಸಾರುವದನ್ನು ಕಂಡೆನು. ೩ ಆ
ಸುರುಳಿಯನ್ನು ಬಿಚ್ಚುವದಕ್ಕಾದರೂ ಅದರೊಳಗೆ ನೋಡುವದಕ್ಕಾದರೂ ಪರಲೋಕದಲ್ಲಿಯಾಗಲಿ
ಭೂಮಿಯಲ್ಲಾಗಲಿ ಭೂಮಿಯ ಕೆಳಗಾಗಲಿ ಯಾವನಿಗೂ ಶಕ್ತಿಯಿರಲಿಲ್ಲ. ೪ ಆಗ ಸುರುಳಯನ್ನು
ಬಿಚ್ಚುವದಕ್ಕಾಗಲಿ ಅದರಲ್ಲಿ ನನೋಡುವದಕ್ಕಾಗಲಿ ಯೋಗ್ಯನಾದವನು ಒಬ್ಬನೂ ಸಿಕ್ಕಲಿಲ್ಲವಾದ
ಕಾರಣ ನಾನು ಬಹಳವಾಗಿ ಅಳುತ್ತಿರಲು ೫ ಹಿರಿಯರಲ್ಲಿ ಒಬ್ಬನು ನನಗೆ – ಅಳಬೇಡ
ಅಗೋ ಯೂದಾ ಕುಲದಲ್ಲಿ ಜನಿಸಿದ ಸಿಂಹವೂ ದಾವಿದನ ಅಂಕುರದವನೂ ಆಗಿರುವಾತನು
ಜಯಹೊಂದಿದನು. ಆತನು ಆ ಸುರುಳಿಯನ್ನೂ ಅದರ ಏಳು ಮುದ್ರೆಗಳನ್ನೂ ಬಿಚ್ಚುವನು
ಎಂದು ಹೇಳಿದನು. ೬ ಸಿಂಹಾಸನವು ನಾಲ್ಕು ಜೀವಿಗಳೂ ಇದ್ದ ಸ್ಥಲಕ್ಕೂಹಿರಿಯರು ಇದ್ದ
ಸ್ಥಳಕ್ಕೂ ಮಧ್ಯದಲ್ಲಿ ಒಂದು ಕುರಿ ಕೊಯ್ಯಲ್ಪಟ್ಟದ್ದಾಗಿ ನಿಂತಿರುವದನ್ನು ಕಂಡೆನು. ಅದಕ್ಕೆ
ಏಳು ಕೊಂಬುಗಳೂ ಏಳು ಕಣ್ಣುಗಳೂ ಇದ್ದವು. ಅವು ಏನೆಂದರೆ ಭೂಮಿಯ ಮೇಲೆಲ್ಲಾ
ಕಳುಹಿಸಲ್ಪಟ್ಟಿರುವ ದೇವರ ಏಳು ಆತ್ಮಗಳು. ೭ ಈತನು ಮುಂದೆ ಬಂದು ಸಿಂಹಾಸನದ ಮೇಲೆ
ಕೂತಿದ್ದಾತನ ಬಲಗೈಯೊಳಗಿಂದ ಆ ಸುರುಳಿಯನ್ನು ತೆಗೆದುಕೊಂಡನು. ೮ ತೆಗೆದುಕೊಂಡಾಗ
ಆ ನಾಲ್ಕು ಜೀವಿಗಳೂ ಇಪ್ಪತ್ತು ನಾಲ್ಕು ಮಂದಿ ಹಿರಿಯರೂ ಯಜ್ಞದ ಕುರಿಯಾದಾತನ ಪಾದಕ್ಕೆ
ಬಿದ್ದರು. ಹಿರಿಯರ ಕೈಗಳಲ್ಲಿ ವೀಣೆಗಳೂ ದೇವ ಜನರ ಪ್ರಾರ್ಥನೆಗಳೆಂಬ ದೂಪದಿಂದ ತುಂಬಿದ್ದ
ಚಿನ್ನದ ಧೂಪಾರತಿಗಳು ಇದ್ದವು. ೯ ಅವರು ಹೊಸ ಹಾಡನ್ನು ಹಾಡುತ್ತಾ ನೀನು ಸುರುಳಿಯನ್ನು
ತೆಗೆದುಕೊಂಡು ಅದರ ಮುದ್ರೆಯನ್ನು ಒಡೆಯುವದಕ್ಕೆ ಯೋಗ್ಯನು. ನೀನು ಯಜ್ಞಾರ್ಪಿತನಾಗಿ
ನಿನ್ನ ರಕ್ತದಿಂದ ಸಕಲ ಕುಲ ಬಾಷೆ ಪ್ರಜೆ ಜನಾಂಗಗಳವರಿಂದ ಮನುಷ್ಯರನ್ನು ದೇವರಿಗಾಗಿ
ಕೊಂಡುಕೊಂಡಿ.ಅವರನ್ನು ನಮ್ಮ ದೇವರಿಗೋಸ್ಕರ ರಾಜ್ಯವನ್ನಾಗಿಯೂ , ೧೦ ಯಾಜಕರನ್ನಾಗಿಯೂ
ಮಾಡಿದಿ ಅವರು ಭೂಮಿಯ ಮೇಲೆ ಆಳುವರು. ಎಂದು ಹೇಳಿದನು. ೧೧ ಇದಲ್ಲದೆ ಸಿಂಹಾಸನವು
ಜೀವಿಗಳು ಹಿರಿಯರು ಇವರ ಸುತ್ತಲೂ ಬಹು ಮಂದಿ ದೇವದೂತರನ್ನು ಕಂಡೆನು. ಅವರ
ಸಂಖ್ಯೆಯು ಕೋಟ್ಯಾನುಕೋಟಿಯಾಗಿಯೂ ಲಕ್ಷೋಪಲಕ್ಷವಾಗಿಯೂ ಇತ್ತು ೧೨ ಅವರ ಸ್ವರವು
ನನಗೆ ಕೇಳಿಸಿತು ಅವರು ಮಹಾ ಶಬ್ದದಿಂದ ವಧಿತನಾದ ಕುರಿಯಾದಾತನು ಬಲ ಐಶ್ವರ್ಯ ಜ್ಞಾನ
ಸಾಮರ್ಥ ಮಾನ ಪ್ರಭಾವ ಸ್ತೋತ್ರಗಳನ್ನು ಹೊಂದುವದಕ್ಕೆ ಯೋಗ್ಯನು. ಎಂದು ಹೇಳಿದನು.
೧೩ ಇದಲ್ಲದೆ ಆಕಾಶದಲ್ಲಿಯೂ ಭೂಮಿಯ ಮೇಲೆಯೂ ಬೂಮಿಯ ಕೆಳಗೆಯೂ ಸಮುದ್ರದ
ಮೇಲೆಯೂ ಇರುವ ಎಲ್ಲಾ ಸೃಷ್ಟಗಳು ಅಂದರೆ ಭೂಮ್ಯಾಕಾಶಸಮುದ್ರಗಳೊಳಗೆ ಇರುವದೆಲ್ಲವೂ
– ಸಿಂಹಾಸನಾಸೀನನಿಗೂ ಯಜ್ಞದ ಕುರಿಯಾದಾತನಿಗೂ ಸ್ತೋತ್ರ ಮಾನ ಪ್ರಭಾವ ಆಧಿಪತ್ಯಗಳು
ಯುಗಯುಗಾಂತರಗಳಲ್ಲಿಯೂ ಇರಲಿ. ಎಂದು ಹೇಳುವದನ್ನು ಕೇಳಿದೆನು. ೧೪ ಆಗ ನಾಲ್ಕು
ಜೀವಿಗಳು ಆಮೆನ ಅಂದವು ಮತ್ತು ಹಿರಿಯರು ಅಡ್ಡ ಬಿದ್ದು ನಮಸ್ಕಾರ ಮಾಡಿದರು.

### ಮೊದಲ ನಾಲ್ಕು ಮುದ್ರೆಗಳನ್ನು ಒಡೆಯಲು ಯುದ್ಧ ಕ್ಷಾಮ ಕೊಲೆ ಇವುಗಳ ಗುರುತುಗಳು ಕಾಣಿಸಿದ್ದು.

೬ ೧ ಯಜ್ಞದ ಕುರಿಯಾದಾತನು ಆ ಏಳು ಮುದ್ರೆಗಳಲ್ಲಿ ಒಂದು ಮುದ್ರೆಯನ್ನು ಒಡೆಯುವಾಗ
ನಾನು ನೋಡಿದೆನು. ಮತ್ತು ಆ ನಾಲ್ಕು ಜೀವಿಗಳಲ್ಲಿ ಒಂದು ಜೀವಿಯು ಬಾ ಎಂದು
ಗುಡುಗಿನಂತಿದ್ದ ಸ್ವರದಿಂದ ಹೇಳುವದನ್ನು ಕೇಳಿದೆನು. ೨ ಆಗ ಇಗೋ ಒಂದು ಬಿಳಿ ಕುದುರೆ
ಕಾಣಿಸಿತು. ಅದರ ಮೇಲೆ ಕೂತಿದ್ದವನ ಕೈಯಲ್ಲಿ ಬಿಲ್ಲು ಇತ್ತು .ಅವನಿಗೆ ಜಯಮಾಲೆ
ಕೊಡಲ್ಪಟ್ಟಿತು. ಅವನು ಜಯಿಸುವದಕ್ಕೋಸ್ಕರ ಹೊರಟನು.
೩ ಆತನು ಎರಡನೆಯ ಮುದ್ರೆಯನ್ನು ಒಡೆದಾಗ ಎರಡನೆಯ ಜೀವಿಯು ಬಾ ಅನ್ನುವದನ್ನು
ಕೇಳಿದೆನು. ೪ ಆಗ ಮತ್ತೊಂದು ಕುದುರೆಯು ಹೊರಟು ಬಂತು ಅದು ಕೆಂಪು ಕುದುರೆ ಅದರ
ಮೇಲೆ ಕೂತಿದ್ದವನಿಗೆ ಭೂಮಿಯಿಂದ ಸಮಾಧಾನವನ್ನು ತೆಗೆದುಬಿಡುವದಕ್ಕೂ ಅಧಿಕಾರವು
ಕೊಡಲ್ಪಟ್ಟಿತು. ಅವನಿಗೆ ದೊಡ್ಡ ಕತ್ತಿಯು ಕೊಡಲ್ಪಟ್ಟಿತು.
೫ ಆತನು ಮೂರನೆಯ ಮುದ್ರೆಯನ್ನು ಒಡೆದಾಗ ಮೂರನೆಯ ಜೀವಿಯು ಬಾ ಅನ್ನುವದನ್ನು
ಕೇಳಿದೆನು.ಆಗ ಇಗೋ ಕಪ್ಪು ಕುದುರೆಯು ಕಾಣಿಸಿತು. ಅದರ ಮೇಲೆ ಕೂತಿದ್ದವನ ಕೈಯಲ್ಲಿ
ತ್ರಾಸು ಇತ್ತು. ೬ ಆ ಮೇಲೆ ನಾಲ್ಕು ಜೀವಿಗಳ ಮಧ್ಯದಿಂದ ಒಬ್ಬನ ಧ್ವನಿಯು ಹೊರಟ ಹಾಗೆ
ಕೇಳಿದೆನು. ರೂಪಾಯಿಗೆ ಮೂರು ಸೇರು ಜವೆಗೋದಿ ಎಣ್ಣೆಯನ್ನು ದ್ರಾಕ್ಷಾರಸವನ್ನು
ಕೆಡಿಸಬೇಡ ಎಂದು ಹೇಳಿತು.
೭ ಆತನು ನಾಲ್ಕನೆಯ ಮುದ್ರೆಯನ್ನು ಒಡೆದಾಗ ನಾಲ್ಕನೆಯ ಜೀವಿಯು ಬಾ ಅನ್ನುವ ಶಬ್ದವನ್ನು
ಕೇಳಿದೆನು. ೮ಆಗ ಇಗೋ ಬೂದಿ ಬಣ್ಣದ ಕುದುರೆಯು ಕಾಣಿಸಿತು. ಅದರ ಮೇಲೆ ಕೂತಿದ್ದವನ
ಹೆಸರು ಮೃತ್ಯುವು. ಅವನ ಹಿಂದೆ ಪಾತಾಳವೆಂಬವನು ಬಂದನು. ಅವರಿಗೆ ಭೂಮಿಯ ಕಾಲು
ಭಾಗದಲ್ಲಿ ಕತ್ತಿಯಿಂಲೂ ಬರದಿಂದಲೂ ಅಂಟುರೋಗದಿಂದಲೂ ಕಾಡುಮೃಗಗಳಿಂದಲೂ
ಕೊಲ್ಲುವದಕ್ಕೆ ಅಧಿಕಾರವು ಕೊಡಲ್ಪಟ್ಟಿತು.

### ಐದನೆಯ ಮುದ್ರೆಯನ್ನು ಒಡೆದದ್ದು ರಕ್ತ ಸಾಕ್ಷಿಗಳ ಆತ್ಮಗಳು ದೇವರ ಶತ್ರುಗಳಿಗೆ ಪ್ರತಿದಂಡನೆಯಾಗಬೇಕೆಂದು ಮೊರೆಯಿಟ್ಟದ್ದು.

೯ ಆತನು ಐದನೆಯ ಮುದ್ರೆಯನ್ನು ಒಡೆದಾಗ ದೇವರ ವಾಕ್ಯದ ನಿಮಿತ್ತವಾಗಿಯೂ
ತಾವು ಹೇಳಿದ ಸಾಕ್ಷಿಯ ನಿಮಿತ್ತವಾಗಿಯೂ ಹತವಾದವರ ಆತ್ಮಗಳಯ ಯಜ್ಞವೇದಿಯ
ಕೆಳಗಿರುವದನ್ನು ಕಂಡೆನು ೧೦ ಅವರು – ಒಡೆಯನೇ, ಪರಿಶುದ್ಧನೂ ಸತ್ಯವಂತನೂ
ಆಗಿರುವಾತನೇ ಭೂನಿವಾಸಿಗಳು ನಮ್ಮನ್ನು ಕೊಂದದ್ದಕ್ಕಾಗಿ ನೀನು ಎಷ್ಟು ಕಾಲದವರೆಗೆ
ನ್ಯಾಯವಿಚಾರಿಸದೆಯೂ ಪ್ರತಿದಂಡನೆ ಮಾಡದೆಯೂ ಇರುವಿ? ಎಂದು ಮಹಾ ಶಬ್ದದಿಂದ
ಕೂಗಿದರು. ೧೧ಅದರಲ್ಲಿ ಒಬ್ಬೊಬ್ಬನಿಗೆ ಒಂದೊಂದು ಬಿಳಿ ನಿಲುವಂಗಿಯು ಕೊಡಲ್ಪಟ್ಟಿತು.
ಇದಲ್ಲದೆ ನಿಮ್ಮ ಹಾಗೆ ಕೊಲೆಯಾಗಬೇಕೆಗಿರುವ ನಿಮ್ಮ ಸಹೋದರರ ಮತ್ತು ನಿಮ್ಮ ಜೊತೆ
ದಾಸರ ಸಂಖ್ಯೆಯು ಪೂರ್ಣವಾಗುವ ತನಕ ಇನ್ನೂ ಸ್ವಲ್ಪ ಕಾಲ ವಿಶ್ರಮಿಸಿಕೊಂಡಿರಬೇಕೆಂದು
ಅವರಿಗೆ ಉತ್ತರವಾಯಿತು.

### ಆರನೆಯ ಮುದ್ರೆಯು ಒಡೆದದ್ದು ಮನುಷ್ಯರು ದೇವರ ಕೋಪದಿಂದ ತಪ್ಪಿಸಿಕೊಳ್ಳಬೇಕೆಂದು ಓಡಿಹೋದದ್ದು.

೧೨ ಆತನು ಆರನೆಯ ಮುದ್ರೆಯನ್ನು ಒಡೆಯುವದನ್ನು ಕಂಡೆನು. ಒಡೆದಾಗ ಮಹಾ ಭೂಕಂಪ
ಉಂಟಾಯಿತು. ಸೂರ್ಯನು ಕರಿ ಕಂಬಳಿಯಂತೆ ಕಪ್ಪಾದನು. ಪೂರ್ಣಚಂದ್ರನು ರಕ್ತದಂತಾನು.
೧೩ ಅತ್ತಿಮರವು ಬಿರುಗಾಳಿಯಿಂದ ಅಲ್ಲಾಡಿಸಲ್ಪಟ್ಟು ತನ್ನ ಕಾಯಿಗಳನ್ನು ಉದುರಿಸುವ
ಪ್ರಕಾರ ಆಕಾಶದ ನಕ್ಷತ್ರಗಳಯ ಬೂಮಿಗೆ ಬಿದ್ದವು. ೧೪ ಆಕಾಶವು ಸುರುಳಿಯ ಹಾಗೆ ಸುತ್ತಲ್ಪಟ್ಟು
ಹೋಗಿಬಿಟ್ಟಿತು. ಎಲ್ಲಾ ಬೆಟ್ಟಗಳು ದ್ವೀಪಗಳು ತಮ್ಮತಮ್ಮ ಸ್ಥಳಗಳಿಂದ ಚಲಿಸಿದವು. ೧೫ ಇದಲ್ಲದೆ
ಭೂರಾಜರೂ ಪ್ರಭುಗಳೂ ಸಹಸ್ರಾಧಿಪತಿಗಳೂ ಐಶ್ವರ್ಯವಂತರೂ ಪರಾಕ್ರಮಶಾಲಿಗಳೂ
ಎಲ್ಲಾ ದಾಸರೂ ಸ್ವತಂತ್ರರೂ ಬೆಟ್ಟಗಳ ಗವಿಗಳಿಗೂ ಬಂಡೆಗಳ ಸಂದುಗಳಿಗೂ ಓಡಿಹೋಗಿ
ತಮ್ಮನ್ನು ಮರೆಮಾಡಿಕೊಂಡು, ೧೬ ಬೆಟ್ಟಗಳಿಗೂ ಬಂಡೆಗಳಿಗೂ ನಮ್ಮ ಮೇಲೆ ಬೀಳಿರಿ,
ಸಿಂಹಾಸನದ ಮೇಲೆ ಕೂತಿರುವಾತನ ಮುಖಕ್ಕೂ ಯಜ್ಞದ ಕುರಿಯಾದಾತನ ಕೋಪಕ್ಕೂ ನಮ್ಮನ್ನು

ಮರೆಮಾಡಿರಿ. ೧೭ ಅವರ ಕೋಪವು ಕಾಣಿಸುವ ಮಹಾ ದಿನ ಬಂದಿದೆ. ಅದರ ಮುಂದೆ
ನಿಲ್ಲುವದಕ್ಕೆ ಯಾರು ಶಕ್ತರು ಎಂದು ಹೇಳಿದರು.

### ರಕ್ಷಣೆಯನ್ನು ಹೊದಿದ ಯೆಹೂದ್ಯರನ್ನೂ ಅನ್ಯಜನರನ್ನೂ ಕುರಿತಿದ್ದು.

೭ ೧ ಇದಾದ ಮೇಲೆ ನಾಲ್ಕು ಮಂದಿ ದೇವದೂತರು ಭೂಮಿಯ ನಾಲ್ಜು ದಿಕ್ಕುಗಳಲ್ಲಿ
ನಿಂತುಕೊಂಡು ಭೂಮಿಯ ಮೇಲಾಗಲಿ ಸಮುದ್ರದ ಮೇಲಾಗಲಿ ಯಾವ ಮರದ
ಮೇಲಾಗಲಿ ಗಾಳಿಬೀಸದಂತೆ ಭೂಮಿಚತುರ್ದಿಕ್ಕುಗಳ ಗಳಿಗಳನ್ನು ಹಿಡಿದಿರುವದನ್ನು
ಕಂಡೆನು. ೨ ಇದಲ್ಲದೆ ಮತ್ತೊಬ್ಬ ದೇವದೂತನು ಜೀವಸ್ವರೂಪನಾದ ದೇವರ ಮುದ್ರೆಯನ್ನು
ಹಿಡಕೊಂಡು ಮೂಡಣ ದಿಕ್ಕಿನಿಂದ ಏರಿಬರುವದನ್ನು ಕಂಡೆನು. ಅವನು ಭೂಮಿಯನ್ನೂ
ಸಮುದ್ರವನ್ನೂ ಕೆಡಿಸುವದಕ್ಕೆ ಅಧಿಕಾರ ಹೊಂದಿದ ಆ ನಾಲ್ಕು ಮಂದಿ ದೇವದೂತರಿಗೆ
೩ ನಾವು ನಮ್ಮ ದೇವರ ದಾಸರಿಗೆ ಹಣೆಯ ಮೇಲೆ ಮುದ್ರೆ ಇತ್ತುವ ತನಕ ಭೂಮಿಯನ್ನಾಗಲಿ
ಸಮುದ್ರವನ್ನಾಗಲಿ ಮರಗಳನ್ನಾಗಲಿ ಕೆಡಿಸಬೇಡಿರಿ ಎಂದು ಮಹಾ ಶಬ್ದದಿಂದ ಕೂಗಿ
ಹೇಳಿದನು. ೪ ಮುದ್ರೆ ಒತ್ತಿಸಿಕೊಂಡವರ ಸಂಖ್ಯೆಯು ಪ್ರಸಿದ್ಧವಾದಾಗ ನಾನು ಕೇಳಿದೆನು.
ಇಸ್ರಾಯೇಲ್ಯರ ಪ್ರತಿಯೊಂದು ಕುಲಕ್ಕೆ ಸೇರಿದವರು ಒತ್ತಿಸಿಕೊಂಡರು. ಅವರ ಸಂಖ್ಯೆ ಒಂದು
ಲಕ್ಷ ನಾಲ್ವತ್ತು ನಾಲ್ಕು ಸಾವಿರ ಮಂದಿ. ೫ ಯೂದನ ಕುಲದವರಲ್ಲಿ ಮುದ್ರೆಹಾಕಿಸಿಕೊಂಡವರು
ಹನ್ನೆರಡು ಸಾವಿರ. ರೂಬೇನನ ಕುಲದವರಲ್ಲಿ ಹನ್ನೆರಡು ಸಾವಿರ. ಗಾಡನ ಕುಲದವರಲ್ಲಿ ಹನ್ನೆರಡು
ಸಾವಿರ ೬ ಅಷೇರನ ಕುಲದವರಲ್ಲಿ ಹನ್ನೆರಡು ಸಾವಿರ ನೆಫ್ತಲೀಮನ ಕುಲದವರಲ್ಲಿ ಹನ್ನೆರಡು
ಸಾವಿರ ಮನಾಸ್ಸೆಯ ಕುಲದವರಲ್ಲಿ ಹನ್ನೆರಡು ಸಾವಿರ ೭ ಸಿಮೋನನ ಕುಲದವರಲ್ಲಿ ಹನ್ನೆರಡು
ಸಾವಿರ ಲೇವಿಯ ಕುಲದವರಲ್ಲಿ ಹನ್ನೆರಡು ಸಾವಿರ ಇಸ್ಸಕಾರನ ಕುಲದವರಲ್ಲಿ ಹನ್ನೆರಡು ಸಾವಿರ
೮ ಜೆಬುಲೋನನ ಕುಲದವರಲ್ಲಿ ಹನ್ನೆರಡು ಸಾವಿರ ಯೋಸೆಫನ ಕುಲದವರಲ್ಲಿ ಹನ್ನೆರಡು
ಸಾವಿರ ಬೆನ್ಯಾಮೀನನ ಕುಲದವರಲ್ಲಿ ಮುದ್ರೆ ಹಾಕಿಸಿಕೊಂಡವರು ಹನ್ನೆರಡು ಸಾವಿರ ಮಂದಿ
ಇದ್ದರು.

೯ ಇವುಗಳಾದ ಮೇಲೆ ಯಾರಿಂದಲೂ ಎಣಿಸಲಾಗದಂಥ ಮಹಾ ಸಮೂಹವು ಸಿಂಹಾಸನದ
ಮುಂದೆಯೂ ಯಜ್ಞದ ಕುರಿಯಾದಾತನ ಮುಂದೆಯೂ ನಿಂತಿರುವದನ್ನು ಕಂಡೆನು. ಅವರು
ಸಕಲ ಜನಾಂಗ ಕುಲ ಪ್ರಜೆಗಳವರೂ ಸಕಲ ಬಾಷೆಗಳನ್ನಾಡುವವರೂ ಆಗಿದ್ದರು. ಅವರು
ಬಿಳೀ ನಿಲುವಂಗಿಗಳನ್ನು ತೊಟ್ಟುಕೊಂಡು ತಮ್ಮ ಕೈಗಳಲ್ಲಿ ಖರ್ಜೂರದ ಗರಿಗಳನ್ನು
ಹಿಡಿದುಕೊಂಡಿದ್ದರು. ೧೦ ಅವರು ಸಿಂಹಾಸೀನನಾಗಿರುವ ನಮ್ಮ ದೇವರಿಗೂ ಯಜ್ಞದ
ಕುರಿಯಾದಾತನಿಗೂ ನಮಗೆ ರಕ್ಷಣೆ ಉಂಟಾದದ್ದಕ್ಕಾಗಿ ಸ್ತೋತ್ರ ಎಂದು ಮಹಾ ಶಬ್ದದಿಂದ
ಕೂಗಿದರು. ೧೧ ಅಷ್ಟರಲ್ಲಿ ದೇವದೂತರೆಲ್ಲರೂ ಸಿಂಹಾಸನದ ಹಿರಿಯರು ನಾಲ್ಕು ಜೀವಿಗಳು
ಇವುಗಳ ಸುತ್ತಲೂ ನಿಂತುಕೊಂಡಿದ್ದರುಅವರು ಸಿಂಹಾಸನದ ಮುಂದೆ ಅಡ್ಡಬಿದ್ದು . ೧೨ ಆಮೆನ
ಸ್ತೋತ್ರವೂ ಪ್ರಭಾವವೂ ಜ್ಞಾನವೂ ಕೃತಜ್ಞತಾಸ್ತುತಿಯೂ ಮಾನವೂ ಬಲವೂ ಶಕ್ತಿಯೂ ನಮ್ಮ
ದೇವರಿಗೆ ಯುಗಯುಗಾಂತರಗಳಲ್ಲಿಯೂ ಇರಲಿ ಆಮೆನ ಎಂದು ಹೇಳುತ್ಆ ದೇವರನ್ನು
ಆರಾಧಿಸಿದರು. ೧೩ ಇದನ್ನು ನೋಡಕೊ ಹಿರಿಯರಲ್ಲಿ ಒಬ್ಬನು ಬಿಳೀ ನಿಲುವಂಗಿಗಳನ್ನು
ತೊಟ್ಟುಕೊಂಡಿರುವವರಾದ ಇವರು ಯಾರು? ಎಲ್ಲಿಂದ ಬಂದರು ಎಂದು ನನ್ನನ್ನು ಕೇಳಲು – ಅಯ್ಯಾ
ನೀನೇ ಬಲ್ಲೆ ಅಂದನು ೧೪ ಅವನು ನನಗೆ ಇವರು ಆ ಮಹಾ ಹಿಂಸೆಯನ್ನು ಅನುಭವಿಸಿ ಬಂದವರು
ಯಜ್ಞದ ಕುರಿಯಾದಾತನ ರಕ್ತದಲ್ಲಿ ತಮ್ಮ ನಿಲುವಂಗಿಗಳನ್ನು ತೊಳೆದು ಶುಭ್ರ ಮಾಡಿದ್ದಾರೆ.
೧೫ ಈ ಕಾರಣದಿಂದ ಅವರು ದೇವರ ಸಿಂಹಾಸನದ ಮುಂದೆ ಇದ್ದುಕೊಂಡು ಆತನ ಆಲಯದಲ್ಲಿ
ಹಗಲಿರುಳು ಆತನ ಸೇವೆಮಾಡುತ್ತಾ ಇದ್ದಾರೆ. ಸಿಂಹಾಸನದಲ್ಲಿ ಕೂತಿರುವಾತನು ಗುಡಾರದಂತೆ
ಅವರನ್ನು ಆವರಿಸುವನು. ೧೬ ಇನ್ನು ಮೇಲೆ ಅವರಿಗೆ ಹಸಿವೆ ಇಲ್ಲ. ಬಾಯಾರಿಕೆ ಇಲ್ಲ. ಅವರಿಗೆ
ಬಿಸಿಲಾದರೂ ಯಾವ ಝಳವಾದರೂ ಬಡಿಯುವದಿಲ್ಲ. ೧೭ ಸಿಂಹಾಸನದ ಮಧ್ಯದಲ್ಲಿರುವ ಯಜ್ಞದ
ಕುರಿಯಾದಾತನು ಅವರಿಗೆ ಕುರುಬನಂತಿದ್ದು ಜೀವಜಲದ ಒರತೆಗಳ ಬಳಿಗೆ ನಡಿಸುತ್ತಾನೆ .
ದೇವರು ಅವರ ಕಣ್ಣೀರನ್ನೆಲ್ಲಾ ಒರಸಿಬಿಡುವನು. ಎಂದು ಹೇಳಿದರು.

### ಏಳನೆಯ ಮುದ್ರೆಯನ್ನು ಒಡೆಯಲು ನಿಶಬ್ಧವಾದದ್ದು. ತೂತುರಿಗಳನ್ನು ಹಿಡಿದುಕೊಂಡು ಏಳು ಮಂದಿ ದೇವದೂತರು ಮುಂದೆ ಬಂದದ್ದು. ದೇವಜನರ ಪ್ರಾರ್ಥನೆಗಳು ದೇವರ ಸನ್ನಿಧಿಗೆ ಏರಿಬಂದದ್ದು.

೮ ೧ ಆತನು ಏಳನೆಯ ಮುದ್ರೆಯನ್ನು ಒಡೆದಾಗ ಸುಮಾರು ಅರ್ಧ ಗಂಟೇ ಹೊತ್ತಿನವರೆಗೂ
ಪರಲೋಕವು ನಿಶಬ್ದವಾಯಿತು. ೨ ಆಗ ದೇವರ ಸನ್ನಿಧಿಯಲ್ಲಿ ನಿಂತ ಏಳು ಮಂದಿ
ದೇವದೂತರನ್ನು ಕಂಡೆನುಅವರಿಗೆ ಏಳು ತೂತುರಿಗಳು ಕೊಡಲ್ಪಟ್ಟವು.
೩ ಆ ಮೇಲೆ ಮತ್ತೊಬ್ಬ ದೇವದೂತನು ಬಂದು ಯಜ್ಞವೇದಿಯ ಬಳಿಯಲ್ಲಿ ನಿಂತನು.ಅವನ
ಕೈಯಲ್ಲಚಿನ್ನದ ದೂಪಾರತಿ ಇತ್ತು. ಸಿಂಹಾಸನದ ಮುಂದಣ ಚಿನ್ನದ ದೂಪವೇಧಿಯ ಮೇಲೆ
ದೇವಜನರೆಲ್ಲರ ಪ್ರಾರ್ಥನೆಗಳ ಜೊತೆಯಲ್ಲಿ ಸಮರ್ಪಿಸುವದಕ್ಕಾಗಿ ಅವನಿಗೆ ಬಹಳ ದೂಪ
ಕೊಡಲ್ಪಟ್ಟಿತು. ೪ ಆಗ ದೂಪದ ಹೊಗೆಯು ದೇವದೂತನ ಕೈಯೊಳಗಿಂದ ಹೊರಟು ದೇವಜನರ
ಪ್ರಾರ್ಥನೆಗಳೊಂದಿಗೆ ಕೂಡಿ ದೇವರ ಸನ್ನಿಧಿಗೆ ಏರಿಹೋಯಿತು. ೫ ತರುವಾಯ ಆ
ದೇವದೂತನು ದೂಪಾರತಿಯನ್ನು ತೆಗೆದುಕೊಂಡು ಯಜ್ಎವೇದಿಯ ಮೇಲಿದ್ದ ಕೆಂಡಗಳಿಂದ
ತುಂಬಿಸಿ ಭೂಮಿಗೆ ಬೀಸಾಡಿದನು. ಆಹ ಗುಡುಗುಗಳು ವಾಣಿಗಳು ಮಿಂಚುಗಳು ಭೂಕಂಪವು
ಉಂಟಾದವು.

### ಏಳು ತುತೂರಿಗಳನ್ನು ಕುರಿತದ್ದು. ನಾಲ್ಕು ತುತೂರಿಗಳು ಊದಲಾಗಿ ಆನೆಕಲ್ಲು ರಕ್ತ ಮಾಚಿಪತ್ರೆ ವಿಷ, ಕಲ್ಲಿ ಎಂಬ ಉಪದ್ರವಗಳು ಸಂಭವಿಸಿದ್ದು.

೬ ಏಳು ತುತೂರಿಗಳನ್ನು ಹಿಡಿದಿದ್ದ ಏಳು ಮಂದಿ ದೇವದೂತರು ತುತೂರಿಗಳನ್ನುದುವದಕ್ಕೆ
ಸಿದ್ದಮಾಡಿಕೊಂಡರು.
೭ ಮೊದಲನೆಯ ದೇವದೂತನು ತುತೂರಿಯನ್ನುದಿದಾಗ ರಕ್ತದಲ್ಲಿ ಕಲಸಿದ ಆನೆಕಲ್ಲಿನ
ಮಳೆಯೂ ಬೆಂಕಿಯೂ ಭೂಮಿಗೆ ಸುರಿಯಲ್ಪಟ್ಟವು. ಭೂಮಿಯೊಳಗೆ ಮೂರರಲ್ಲಿ ಒಂದು
ಭಾಗ ಸುಟ್ಟು ಹೋಯಿತು. ಮರಗಳೊಳಗೆ ಮೂರರಲ್ಲಿ ಒಂದು ಭಾಗ ಸುಟ್ಟು ಹೋಯಿತು. ಹಸುರು
ಹುಲ್ಲೆಲ್ಲಾ ಸುಟ್ಟು ಹೋಯಿತು. ೮ ಎವರನೆಯ ದೇವದೂತನು ತುತೂರಿಯನ್ನುದಿದಾಗ ಬೆಂಕಿಹತ್ತಿ
ಉರಿಯುವ ದೊಡ್ಡ ಬೆಟ್ಟವೋ ಎಂಬಂತಿರುವ ಒಂದು ವಸ್ತು ಸಮುದ್ರದಲ್ಲಿ ಹಾಕಲ್ಪಟ್ಟಿತು. ಆಗ
ಸಮುದ್ರದೊಳಗೆ ಮೂರರಲ್ಲಿ ಒಂದು ಭಾಗ ರಕ್ತವಾಯಿತು. ೯ ಸಮುದ್ರ ಜೀವಿಗಳೊಳಗೆ ಮೂರರಲ್ಲಿ
ಒಂದು ಭಗ ಸತ್ತು ಹೋಯಿತು. ಹಡಗುಗಳೊಳಗೆ ಮೂರರಲ್ಲಿ ಒಂದು ಭಾಗ ನಾಶವಾಯಿತು.
೧೦ ಮೂರನೆಯ ದೇವದೂತನು ತುತೂರಿಯನ್ನುದಿದಾಗ ಪಂಜಿನಂತೆ ಉರಿಯುವ ಒಂದು
ದೊಡ್ಡ ನಕ್ಷತ್ರವು ಆಕಾಶದಿಂದ ಬಿತ್ತು ಅದು ನದಿಗಳೊಳಗೆ ಮೂರರಲ್ಲಿ ಒಂದು ಭಾಗದ
ಮೇಲೆಯೂ ನೀರಿನ ಒರತೆಗಳ ಮೇಲೆಯೂ ಬಿತ್ತು ೧೧ ಆ ನಕ್ಷತ್ರಕ್ಕೆ ಮಾಚಿಪತ್ರೆ ಎಂದು
ಹೆಸರು. ನೀರಿನೊಳಗೆ ಮೂರರಲ್ಲಿ ಒಂದು ಭಾಗ ಮಾಚಿಪತ್ರೆಯಂತೆ ಕಹಿಯಾಯಿತುಆ ನೀರು
ವಿಷವಾದ್ದರಿಂದ ಮನುಷ್ಯರಲ್ಲಿ ಅನೇಕರು ಸತ್ತರು.
೧೨ನಾಲ್ಕನೆಯ ದೇವದೂತನು ತುತೂರಿಯನ್ನುದಿದಾಗ ಸೂರ್ಯ ಚಂದ್ರ ನಕ್ಷತ್ರಗಳೊಳಗೆ
ಮೂರರಲ್ಲಿ ಒಂದು ಭಾಗ ಬಡಿಯಲ್ಪಟ್ಟು ಕತ್ತಲಾಯಿತು. ಆದದರಿಂದ ಹಗಲಿನೊಳಗೆ ಒಂದು
ಭಾಗವು ಪ್ರಕಾಶವಿಲ್ಲದೆ ಇತ್ತು. ರಾತ್ರಿಯು ಹಾಗೇಯೆ ಆಯಿತು.

### ಐದನೆಯ ತುತೂರಿ ಊದಿದ್ದು. ಮೊದಲನೆಯ ವಿಪತ್ತು; ಮಿಡತೆಗಳು ಅಧೋಲೋಕದಿಂದ ಭೂಮಿಯ ಮೇಲೆ ಬಂದದ್ದು.

೧೩ ಆ ಮೇಲೆ ನಾನು ನೋಡಲಾಗಿ ಇಗೋ ಒಂದೇ ಗರುಡಪಕ್ಷಿಯು ಆಕಾಶಮಧ್ಯದಲ್ಲಿ
ಹಾರಾಡುತ್ತಿತ್ತು. ಅದು ಅಯ್ಯೋ ಅಯ್ಯೋ ಅಯ್ಯೋ ಗಿರುವ ಮೂವರ ದೇವದೂತರ ಮಿಕ್ಕಾದ
ತುತೂರಿಯ ಧ್ವನಿಗಳು ಉಂಟಾಗುವ ಭೂನಿವಾಸಿಗಳಿಗೆ ಎಂಥಾ ವಿಪತ್ತುಗಳು ಸಂಭವಿಸುವವು
ಎಂದು ಮಹಾ ಶಬ್ದದಿಂದ ಹೇಳುವದನ್ನು ಕೇಳಿದೆನು.
೯ ೧ ಐದನೆಯ ದೇವದೂತನು ತುತೂರಯನ್ನುದಿದಾಗ ಆಕಾಶದಿಂದ ಭೂಮಿಗೆ ಬಿದ್ದ
ಒಂದು ನಕ್ಷತ್ರವನ್ನು ಕಂಡೆನು.ಅವನಿಗೆ ಅಧೋ ಲೋಕಕ್ಕೆ ಹೋಗುವ ಕೂಪದ ಬೀಗದ
ಕೈ ಕೊಡಲ್ಪಟ್ಟಿತು. ೨ ಅವನು ಅಧೋಲೋಕದ ಕೂಪವನ್ನು ತೆರೆಯಲು ಕೂಪದಿಂದ ಬಂದ
ಹೊಗೆ ಕುಲುಮೆಯ ಹೊಗೆಯಂತೆ ಏರಿತು. ಕೂಪದ ಹೊಗೆಯಿಂದ ಸೂರ್ಯನೂ

ಆಕಾಶವೂ ಕತ್ತಲಾಯಿತು. ೩ ಹೊಗೆಯೊಳಗಿಂದ ಮಿಡಿತೆಗಳು ಭೂಮಿಯ ಮೇಲೆ
ಹೊರಟುಬಂದವು. ಭೂಮಿಯಲ್ಲಿರುವ ಚೇಳುಗಳು ಸಾಮರ್ಥ್ಯವಿರುವ ಪ್ರಕಾರ ಅವುಗಳಿಗೆ
ಸಾಮರ್ಥ್ಯ ಕೊಡಲ್ಪಟ್ಟಿತು. ೪ ಭೂಮಿಯ ಮೇಲಿರುವ ಹುಲ್ಲನ್ನಾಗಲಿ ಯಾವ ಪಲ್ಯವನ್ನಾಗಲಿ
ಮರವನ್ನಾಗಲಿ ಕೆಡಿಸದೇ ಹಣೆಯ ಮೇಲೆ ದೇವರ ಮುದ್ರೆಯಿಲ್ಲದವರಾದ ಮನುಷ್ಯರನ್ನು
ಮಾತ್ರ ಕೆಡಿಸಬಹುದೆಂದು ಅವುಗಳಿಗೆ ಅಪ್ಪಣೆಯಾಯಿತು. ೫ ಇವರನ್ನು ಕೊಲ್ಲದೆ ಐದು
ತಿಂಗಳುಗಳ ವರೆಗೂ ಪೀಡಿಸುವದಕ್ಕೆ ಅಪ್ಪಣೆಯಾಯಿತು ಅವರಿಗುಂಟಾದ ಪೀಡೆಯು ಚೇಳು
ಮನುಷ್ಯನನ್ನು ಹೊಡೆಯುವದರಿಂದುಂಟಾಗುವ ಪೀಡೆಗೆ ಸಮಾನವಾಗಿತ್ತು. ೬ ಆ ಕಾಲದಲ್ಲಿ
ಮನುಷ್ಯನು ಮರಣವನ್ನು ಬಯಸುವರು. ಆದರೆ ಅದು ಪ್ರಾಪ್ತವಾಗುವದಿಲ್ಲ. ಸಾಯಬೇಕೆದು
ಕೋರುವರು. ಆದರೆ ಮೃತ್ಯುವು ಅವರ ಬಳಿಯಿಂದ ಓಡಿಹೋಗುವದು. ೭ ಆ ಮಿಡಿತೆಗಳ
ರೂಪವು ಯುದ್ಧಕ್ಕೆ ಸನ್ನದ್ಧವಾಗಿರುವ ಕುದುರೆಗಳ ರೂಪದಂತೆ ಇತ್ತು.ಅವುಗಳ ತಲೆಯ ಮೇಲೆ
ಚಿನ್ನದ ಕಿರೀಟಗಳಂತೆ ಏನೋ ಇದ್ದವು. ಅವುಗಳ ಮುಖಗಳು ಮನುಷ್ಯರ ಮುಖಗಳ ಹಾಗೆ ಇದ್ದವು.
೮ ಸ್ತ್ರೀಯರ ಕೂದಲಿನಂತಿರುವ ಕೂದಲು ಅವುಗಳಿಗೆ ಇತ್ತು. ಅವುಗಳ ಹಲ್ಲುಗಳು ಸಿಂಹದ ಹಲ್ಲುಗಳ
ಹಾಗಿದ್ದವು. ೯ ಅವುಗಳಿಗೆ ಉಕ್ಕಿನ ಕವಚಗಳಂತಿದ್ದ ಕವಚಗಳು ಇದ್ದವು. ಅವುಗಳ ರೆಕ್ಕೆಗಳ
ಶಬ್ದವು ಯುದ್ಧಕ್ಕೆ ಓಡುವ ರಥಾಶ್ವಗಳ ಶಬ್ದ ಹಾಗೆ ಇತ್ತು. ೧೦ ಚೇಳಿಗಿರುವಂತೆ ಅವುಗಳಿಗೆ
ಬಾಲಗಳೂ ಕೊಂಡಿಗಳೂ ಉಂಟು. ಮನುಷ್ಯರನ್ನು ಐದು ತಿಂಗಳುಗಳ ವರೆಗೂ ಪೀಡಿಸುವ
ಸಾಮರ್ಥ್ಯವು ಅವುಗಳ ಬಲಗಳಲ್ಲಿಯೇ ಇರುವದು ೧೧ ಅಧೋಲೋಕದ ಅಧಿಕಾರಿಯಾದ
ದೂತನು ಅವುಗಳನ್ನಾಳುವ ಅರಸನು ಅವನಿಗೆ ಇಬ್ರಿಯ ಬಾಷೆಯಲ್ಲಿ ಅಬದ್ದೋನನೆಂತಲೂ ಗ್ರೀಕ
ಬಾಷೆಯಲ್ಲಿ ಅಪೊಲ್ಲುವೋನನೆಂತಲೂ ಹೆಸರುಂಟು.
೧೨ ಮೊದಲನೆಯ ವಿಪತ್ತು ಕಳೆದುಹೋಯಿತು ಇಗೋ ಇನ್ನು ಎರಡು ವಿಪತ್ತುಗಳು ಬರಬೇಕು.

### ಆರನೆಯ ತುತೂರಿ ಊದಿದ್ದು. ಎರಡನೆಯ ವಿಪತ್ತು . ಬಯಂಕರವಾದ ರಾಹುತರು ಯೂಫ್ರೇಟೀಸ ನದಿಯ ಕಡೆಯಿಂದ ಬಂದಿದ್ದು.

೧೩ ಆರನೆಯ ದೇವ ದೂತನು ತುತೂರಿಯನ್ನೂದಿದಾಗ ದೆವರ ಸಮ್ಮುಖದಲ್ಲಿರುವ
ಚಿನ್ನದ ವೇದಿಯ ಕೊಂಬುಗಳಿಂದ ಹೊರಟ ಒಂದೇ ದ್ವನಿಯನ್ನು ಕೇಳಿದೆನು. ೧೪ ಅದು
ತುತೂರಿಯನ್ನು ಹಿಡಿದಿದ್ದ ಆರನೆಯ ದೇವದೂತನಿಗೆ ಯೂಫ್ರೇಟಿಸ ಎಂಬ ಮಹಾ ನದಿಯ
ಬಳಿಯಲ್ಲಿ ಕಟ್ಟಿರುವ ನಾಲ್ಕು ಮಂದಿ ದೇವದೂತರನ್ನು ಬಿಚ್ಚಿಬಿಡು ಎಂದು ಹೇಳಿತು. ೧೫ ಆಗ
ಮನುಷ್ಯರೊಳಗೆ ಮೂರರಲ್ಲಿ ಒಂದು ಭಾಗದ ಜನರನ್ನು ಸಂಹಾರಮಾಡುವದಕ್ಕಾಗಿ ಅದೇ ವರುಷ
ಅದೇ ತಿಂಗಳು ದಿನ ತಾಸಿಗೆ ಸಿದ್ದವಾಗಿದ್ದ ಆ ನಾಲ್ಕು ಮಂದಿ ದೇವದೂತರನ್ನು ಬಿಚ್ಚಿಬಿಟ್ಟರು.
೧೬ ಕುದುರೇ ದಂಡಿನವರ ಸಂಖ್ಯೆಯು ಇಪ್ಪತ್ತು ಕೋಟಿ ಎಂದು ನನಗೆ ಕೇಳಿಸಿತು. ೧೭ ನಾನು
ದರ್ಶನದಲ್ಲಿ ಕಂಡ ಕುದುರೆಗಳ ಮತ್ತು ಸವಾರರ ವಿವರಣೆ ಹೇಗಂದರೆ – ಸವಾರರ ಕವಚಗಳ
ಬಣ್ಣವು ಬೆಂಕಿ ಹೊಗೆ ಗಂಧಕ ಇವುಗಳು ಹೊರಡುತ್ತಿದ್ದವು. ೧೮ ಅವುಗಳ ಬಾಯಿಂದ ಹೊರಟ ಆ
ಬೆಂಕಿ ಹೊಗೆ ಗಂಧಕ ಎಂಬ ಮೂರು ಉಪದ್ರವಗಳಿಂದ ಮನುಷ್ಯರಲ್ಲಿ ಮೂರನೆಯ ಭಾಗವು
ಹತವಾಯಿತು. ೧೯ ಆ ಕುದುರೆಗಳ ಸಾಮರ್ಥ್ಯವು ಅವುಗಳ ಬಾಯಲ್ಲಿಯೂ ಬಾಲಗಳಲ್ಲಿಯೂ
ಇತ್ತು. ಅವುಗಳ ಬಾಲಗಳು ತಲೆಗಳುಳ್ಳವುಗಳಾಗಿ ಸರ್ಪಗಳ ಹಾಗೆ ಇದ್ದವು. ಅವುಗಳಿಂದ
ಕೇಡನ್ನುಂಟುಮಾಡುತ್ತವೆ. ೨೦ ಉಪದ್ರವಗಳಿಂದ ಸಾಯದೆ ಉಳಿದ ಜನರು ತಾವೇ ಮಾಡಿಕೊಂಡ
ವಿಗ್ರಹಗಳನ್ನು ಬಿಟ್ಟು ದೇವರ ಕಡೆಗೆ ತಿರುಗಲಿಲ್ಲ. ಅವರು ದೆವ್ವಗಳ ಪೂಜೆಯನ್ನೂ ಬಂಗಾರ
ಬೆಳ್ಳಿ ತಾಮ್ರ ಕಲ್ಲು ಮರ ಇವೇ ಮುಂತಾದವುಗಳಿಂದ ಮಾಡಲ್ಪಟ್ಟು ನೋಡಲಾರದೆ ಕೇಳಲಾರದೆ
ನಡೆಯಲಾರದೆ ಇರುವ ವಿಗ್ರಹಗಳ ಪೂಜೆಯನ್ನು ಬಿಡಲಿಲ್ಲ. ೨೧ ಇದಲ್ಲದೆ ತಾವು ನಡೆಸುತ್ತಿದ್ದ
ಕೊಲೆ ಮಾಟ ಜಾರತ್ವ ಕಳ್ಳತನ ಇವುಗಳೊಳಗೆ ಒಂದನ್ನೂ ಬಿಟ್ಟು ಮಾನಸಾಂತರ ಮಾಡಿಕೊಳ್ಳಲಿಲ್ಲ.

### ಬಲಿಷ್ಟನಾದ ದೇವದೂತನ ಕೈಯಲ್ಲಿ ಚಿಕ್ಕ ಸುರುಳಿಯನ್ನು ಹಿಡಿದುಕೊಂಡು – ಇನ್ನೂ ಸಾವಕಾಶವಿಲ್ಲದೆ ದೇವರ ಗೂಢ ಸಂಕಲ್ಪವು ನೆರವೇರುವದೆಂದು ಪ್ರಕಟಿಸಿದ್ದು.

೧೦ ೧ ತರುವಾಯ ಬಲಿಷ್ಟವಾದ ಮತ್ತೊಬ್ಬ ದೇವದೂತನು ಪರಲೋಕದಿಂದ
ಇಳಿದುಬರುವದನ್ನು ಕಂಡೆನು. ಅವನು ಮೇಘವನ್ನು ಧರಿಸಿಕೊಂಡಿದ್ದನು. ಅವನ
ತಲೆಯ ಮೇಲೆ ಮುಗಿಲುಬಿಲ್ಲು ಇತ್ತು. ಅವನ ಮುಖವು ಸೂರ್ಯನೋಪಾದಿಯಲ್ಲಿತ್ತು. ೨ ಅವನ
ಪಾದಗಳು ಬೆಂಕಿಯ ಕಂಬಗಳಂತಿದ್ದವು. ಅವನ ಕೈಯಲ್ಲಿ ಬಿಚ್ಚಿದ್ದ ಒಂದು ಸುರುಳಿ ಇತ್ತು.

ಅವನು ಬಲಗಲನ್ನು ಸಮುದ್ರದ ಮೇಲೆಯೂ ಎಡಗಾಲನ್ನು ಭೂಮಿಯ ಮೇಲೆಯೂ ಇಟ್ಟು,
೩ ಸಿಂಹವು ಗರ್ಜಿಸುವ ಪ್ರಕಾರ ಮಹಾ ಶಬ್ದದಿಂದ ಕೂಗಿದನು. ೪ ಕೂಗಿದಾಗ ಏಳು ಗುಡುಗುಗಳು
ಒಂದೊಂದಾಗಿ ಧ್ವನಿಕೊಟ್ಟವು. ಆ ಏಳು ಗುಡುಗುಗಳು ನುಡಿದಾಗ ನಾನು ಬರೆಯಬೇಕೆಂದೆನು
ಆದರೆ – ಆ ಏಳು ಗುಡುಗುಗಳು ನುಡಿದಿದ್ದನ್ನು ನೀನು ಬರೆಯದೇ ಗುಪ್ತವಾಗಿಡು ಎಂದು
ಹೇಳುವ ಆಕಾಶವಾಣಿ ಕೇಳಿದೆನು. ೫ ಅನಂತರ ಸಮುದ್ರದ ಮೇಲೆಯೂ ಭೂಮಿಯ
ಮೇಲೆಯೂ ನಿಂತಿರುವವನಾಗಿ ನನಗೆ ಕಾಣಿಸಿದ ದೇವದೂತನು ತನ್ನ ಬಲಗೈಯನ್ನು
ಪರಲೋಕದ ಕಡೆಗೆ ಎತ್ತಿ ೬ ಪರಲೋಕವನ್ನೂ ಅದರಲ್ಲಿರುವ ಸಮಸ್ತವನ್ನೂ ಭೂಮಿಯನ್ನೂ
ಅದರಲ್ಲಿರುವ ಸಮಸ್ತವನ್ನೂ ಸೃಷ್ಟಿಸಿ ೭ ಯುಗಯುಗಾಂತರಗಳಲ್ಲಿಯೂ ಜೀವಿಸುವಾತನ
ಮೇಲೆ ಆಣೆಯಿಟ್ಟು ಇನ್ನು ಸಾವಕಾಶವಿರುವದಿಲ್ಲ ಏಳನೆಯ ದೇವದೂತನು ಶಬ್ದಮಾಡುವ
ದಿನಗಳಲ್ಲಿ ಅಂದರೆ ಅವನು ತುತೂರಿಯನ್ನು ಊದುವದಕ್ಕಿರುವ ಸಮಯದಲ್ಲಿ ದೇವರು
ಇದುವರೆಗೆ ಗುಪ್ತವಾಗಿಟ್ಟಿದ್ದ ಸಂಕಲ್ಪವನ್ನು ತನ್ನ ದಾಸರಾದ ಪ್ರವಾದಿಗಳಿಗೆ ಶುಭವರ್ತಮಾನವಾಗಿ
ತಿಳಿಸಿದ್ದ ಪ್ರಕಾರ ನೆರವೇರಿಸುವದು ಎಂದು ಹೇಳಿದನು. ೮ ಅನಂತರ ಪರಲೋಕದಿಂದ ನನಗೆ
ಕೇಳಿಸಿದ್ದ ಶಬ್ದವು ತಿರಿಗಿ ನನ್ನೊಂದಿಗೆ ಮಾತಾಡಿ ನೀನು ಹೋಗಿ ಸಮುದ್ರದ ಮೇಲೆಯೂ
ಭೂಮಿಯ ಮೇಲೆಯೂ ನಿಂತುಕೊಂಡಿರುವ ದೂತನ ಕೈಯಲ್ಲಿರುವ ಆ ಬಿಚ್ಚಿದ ಸುರುಳಿಯನ್ನು
ತೆಗೆದುಕೋ ಎಂದು ಹೇಳಿತು. ೯ ನಾನು ಆ ದೂತನ ಬಳಿಗೆ ಹೋಗಿ ಆ ಚಿಕ್ಕ ಸುರುಳಿಯನ್ನು
ನನಗೆ ಕೊಡು ಎಂದು ಕೇಳಲು ಅವನು ನನಗೆ ನೀನು ಇದನ್ನು ತೆಗೆದುಕೊಂಡು ತಿಂದು ಬಿಡು
ಇದು ನಿನ್ನ ಹೊಟ್ಟೆಯನ್ನು ಕಹಿಯಾಗುವಂತೆ ಮಾಡುವದು. ಆದರೆ ನಿನ್ನ ಬಾಯಲ್ಲಿ ಜೇನಿನಂತೆ
ಸಿಹಿಯಾಗಿರುವದು ಎಂದು ಹೇಳಿದನು. ೧೦ ಆಗ ನಾನು ಆ ಚಿಕ್ಕ ಸುರುಳಿಯನ್ನು ಆ ದೂತನ
ಕೈಯಿಂದ ತೆಗೆದುಕೊಂಡು ತಿಂದು ಬಿಟ್ಟೆನು. ಅದು ನನ್ನ ಬಾಯಲ್ಲಿ ಜೇನಿನಂತೆ ಸಿಹಿಯಾಗಿತ್ತು.
ಅದನ್ನು ತಿಂದ ಮೇಲೆ ನನ್ನ ಹೊಟ್ಟೆಯು ಕಹಿಯಾಯಿತು. ೧೧ ಆಮೇಲೆ ಇನ್ನೂ ನೀನು
ಅನೇಕವಾಗಿರುವ ಪ್ರಜೆ ಜನ ಬಾಷೆ ರಾಜ್ಯ ಇವರ ವಿಷಯದಲ್ಲಿ ಪ್ರವಾಧನೆ ಹೇಳಬೇಕೆಂದು
ನನಗೆ ತಿಳಿಸಲ್ಪಟ್ಟಿತು.

### ದೇವರ ಆಲಯವನ್ನು ಅಳೆದದ್ದನ್ನೂ ದೇವರ ಇಬ್ಬರು ಸಾಕ್ಷಿಗಳನ್ನೂ ಕುರಿತದ್ದು

೧೧ ೧ ತರುವಾಯ ದಂಡದಂತಿದ್ದ ಒಂದು ಅಳತೇ ಕೋಲು ನನ್ನ ಕೈಗೆ ಕೊಡಲ್ಪಟ್ಟತು
. ಮತ್ತು ಒಂದು ವಾಣಿ ಉಂಟಾಯಿತು. ಅದು ನನಗೆ ಹೇಳಿದ್ದೇನಂದರೆ –
ನೀನೆದ್ದು ದೇವರ ಆಲಯವನ್ನೂ ಯಜ್ಞವೇದಿಯನ್ನೂ ಅಳತೆಮಾಡಿ ಆಲಯದಲ್ಲಿ ಆರಾಧನೆ
ಮಾಡುವವರನ್ನು ಲೆಕ್ಕಿಸು. ೨ ಆಲಯಕ್ಕೆ ಹೊರಗಿರುವ ಅಂಗಳವನ್ನು ಅಳೆಯದೆ ಬಿಟ್ಟುಬಿಡು.
ಅದು ಅನ್ಯಜನರಿಗೆಗೆ ಬಿಟ್ಟದೆಅವರು ಪರಿಶುದ್ದ ಹಟ್ಟಣವನ್ನು ನಾಲ್ವತ್ತೆರಡು ತಿಂಗಳು
ತುಳಿದಾಡುವರು. ೩ ಇದಲ್ಲದೆ ನನ್ನ ಇಬ್ಬರು ಸಾಕ್ಷಿಗಳು ಗೋಣೀತಟ್ಟುಗಳನ್ನು ಹೊದ್ದುಕೊಂಡು
ಸಾವಿರದ ಇನ್ನೂರ ಆರವತ್ತು ದಿನಗಳ ತನಕ ಪ್ರವಾದಿಸುವ ಹಾಗೆ ಮಾಡುವೆನು. ೪ ಭೂಲೋಕದ
ಒಎಯನ ಮುಂದೆ ನಿಂತಿರುವ ಎರಡು ಎಣ್ಣೀಯ ಮರಗಳೂ ಎರಡು ದೀಪಸ್ತಂಭಗಳೂ ಇವರೇ.
೫ ಇವರಿಗೆ ಯಾವನಾದರು ಕೇಡನ್ನುಂಟುಮಾಡಬೇಕೆಂದಿದ್ದರೆ ಇವರ ಬಾಯೊಳಗಿಂದ
ಬೆಂಕಿ ಹೊರಟು ಇವರ ಶತ್ರುಗಳನ್ನು ದಹಿಸಿಬಿಡುವದು. ಇವರಿಗೆ ಯಾವನಾದರು
ಕೇಡನ್ನುಂಟುಮಾಡಬೇಕೆಂದಿದ್ದರೆ ಅವನಿಗೆ ಆ ರೀತಿಯಾಗಿ ಕೊಲೆಯಾಗಬೇಕು. ೬ ತಾವು
ಪ್ರವಾದಿಸುವ ದಿನಗಳಲ್ಲಿ ಮಳೆಬೀಳದಂತೆ ಆಕಾಶವನ್ನು ಮುಚ್ಚುವ ಅಧಿಕಾರ ಇವರಿಗುಂಟು.
ಇದಲ್ಲದೆ ಇವರಿಗೆ ಇಷ್ಟಬಂದಾಗೆಲ್ಲಾ ನೀರು ರಕ್ತವಾಗುವಂತೆ ಮಾಡುವದಕ್ಕೂ ಸಕಲ ವಿಧವಾದ
ಉಪದ್ರವಗಳಿಂದ ಭೂಮಿಯನ್ನು ಪೀಡಿಸುವದಕ್ಕೂ ಅಧಿಕಾರವುಂಟು. ೭ ಇವರು ತಮ್ಮ ಸಾಕ್ಷಿಯನ್ನು
ಮುಗಿಸಿದ ನಂತರ ಅಧೋಲೋಕದಿಂದ ಬರುವ ಮೃಗವು ಇವರ ಮೇಲೆ ಯುದ್ದ ಮಾಡಿ ಇವರನ್ನು
ಜಯಿಸಿ ಕೊಲ್ಲುವದು. ೮ ಈ ಸಾಕ್ಷಿಗಳ ಶವಗಳು ಮಹಾ ಪಟ್ಟಣದ ಬೀದಿಯಲ್ಲಿ ಬಿದ್ದಿರುವವು
ಆ ಪಟ್ಟಣಕ್ಕೆ ಗೂಡಾರ್ಥವಾಗಿ ಸೊದೊಮ ಎಂತನೂ ಐಗುಪ್ತ ಎಂತಲೂ ಹೆಸರುಗಳುಂಟು.
ಇವರ ಒಡೆಯನು ಸಹ ಅಲ್ಲಿಯೇ ಶಿಲುಬೆಗೆ ಹಾಕಲ್ಪಟ್ಟನು. ೯ ಸಕಲ ಪ್ರಜೆ ಕುಲ ಬಾಷೆ
ಜನಾಂಗಗಳಿಗೆ ಸೇರಿದವರು ಈ ಸಾಕ್ಷಿಗಳ ಶವಗಳನ್ನು ಮೂರುವರೆ ದಿವಗಳ ವರಗೂ ನೋಡುತ್ತಾ
ಇರುವರು. ಅವುಗಳನ್ನು ಸಮಾಧಯಲ್ಲಿ ಇಡಗೊಡಿಸುವದಿಲ್ಲ. ೧೦ ಈ ಇಬ್ಬರು ಪ್ರವಾಧಿಗಳು
ಭೂನಿವಾಸಿಗಳನ್ನು ಪೀಡಿಸಿದ್ದರಿಂದ ಇವರು ಸತ್ತದ್ದಕ್ಕೆ ಭೂನಿವಾಸಿಗಳು ಸಂತೋಷಿಸಿ
ಸಂಭ್ರಮಗೊಂಡು ಒಬ್ಬರಿಗೊಬ್ಬರು ಉಡುಗರೆಗಳನ್ನು ಕಳುಹಿಸುವರು. ೧೧ ಮೂರುವರೆ

ದಿವಗಳಾದ ಮೇಲೆ ದೇವರಿಂದ ಜೀವಾತ್ಮ ಬಂದು ಆ ಶವಗಳಲ್ಲಿ ಹೋಗಲು ಅವು ಕಾಲೂರಿ
ನಿಂತವು. ಅವರನ್ನು ನೋಡಿದವರಿಗೆ ಮಹಾ ಭಯವು ಹಿಡಿಯಿತು. ೧೨ ಆ ಮೇಲೆ ಅವರಿಗೆ
ಇಲ್ಲಿ ಮೇಲಕ್ಕೆ ಬನ್ನಿರಿ ಎಂದು ಆಕಾಶದ ಮಹಾ ವಾಣಿಯು ಹೇಳಿತು. ಅದನ್ನು ಅವರು ಕೇಳಿ
ಮೇಘವಿಮಾನದಲ್ಲಿ ಪರಲೋಕಕ್ಕೆ ಏರಿ ಹೋದರು. ಅವರ ಶತ್ರುಗಳು ಅವರನ್ನು ನೋಡುತ್ತಾ
ಇದ್ದರು. ೧೩ ಅದೇ ಗಳಿಗೆಯಲ್ಲಿ ಮಹಾ ಭೂಕಂಪವುಂಟಾಗಿ ಆ ಪಟ್ಟಣದ ಹತ್ತರಲೊಂದಂಶವು
ಬಿದ್ದುಹೋಯಿತು. ಆ ಭೂಕಂಪದಿಂದ ಏಳಯ ಸಾವಿರ ಮಂದಿ ಸತ್ತು ಹೋದರು. ಉಳಿದವರು
ಭಯಗ್ರಸ್ತರಾಗಿ ಪರಲೋಕ ದೇವರನ್ನು ಘನಪಡಿಸಿದರು.
೧೪ ಎರಡನೆಯ ವಿಪತ್ತು ಕಳೆದುಹೋಯಿತು. ಇಗೋ ಮೂರನೆಯ ವಿಪತ್ತು ಬೇಗನೆ ಬರುತ್ತದೆ.
ಏಳನೆಯ ತುತೂರಿ ಊದಿದ್ದು ದೇವರ ನ್ಯಾಯತೀರ್ಪನ್ನು ಮಾಡುವ ಕಾಲ ಹತ್ತರ ಬಂದದ್ದಕ್ಕಾಗಿ
ಪರಲೋಕದಲ್ಲಿ ಆತನಿಗೆ ಸ್ತೋತ್ರ ಉಂಟಾದದ್ದು. ೧೫ ಏಳನೆಯ ದೇವದೂತನು
ತುತೂರಿಯನ್ನೂದಿದನು ಆಗ ಪರಲೋಕದಲ್ಲಿ ಮಹಾಶಬ್ದಗಳುಂಟಾಗಿ
ಲೋಕದ ರಾಜ್ಯಾಧಿಕಾರವು ನಮ್ಮ ಕರ್ತನಿಗೂ ಆತನು ಅಭಿಷೇಕಿಸಿದವನಿಗೂ ಉಂಟಾಯಿತು.
ಆತನು ಯುಗಯುಗಾಂತರಗಳಲ್ಲಿಯೂ ರಾಜ್ಯವನ್ನಾಳುವನು ಎಂದು ಹೇಳಿದವು.
೧೬ ತರುವಾಯ ದೇವರ ಸಮಕ್ಷಮದಲ್ಲಿ ತಮ್ಮ ತಮ್ಮ ಸಿಂಹಾಸನಗಳ ಮೇಲೆ ಕೂತಿರುವ
ಇಪ್ಪತ್ತು ನಾಲ್ಕು ಮಂದಿ ಹಿರಿಯರು ಆತನಿಗೆ ಅಡ್ಡಬಿದ್ದು ೧೭ ಕರ್ತನೇ ಸರ್ವಶಕ್ತನಾದ ದೇವರೇ
ಸದಾ ಇರುವಾತನೇ ನೀನು ನಿನ್ನ ಮಹಾ ಅಧಿಕಾರವನ್ನು ವಹಿಸಿಕೊಂಡುಆಳಿದ್ದರಿಂದ ನಿನಗೆ
ಕೃತಜ್ಞತಾಸ್ತುತಿಯನ್ನು ಸಲ್ಲಿಸುತ್ತೇವೆ. ೧೮ ಜನಾಮಘಗಳು ಕೋಪಿಸಿಕೊಂಡವು. ನಿನ್ನ ಕೋಪವು
ಪ್ರಕಟವಾಯಿತು. ಸತ್ತವರು ತೀರ್ಪು ಹೊಂದುವ ಸಮಯ ಬಂದದೆ. ನೀನು ನಿನ್ನ ದಾಸರಾದ
ಪ್ರವಾಧಿಗಳಿಗೂ ದೇವಜನರಿಗೂ ನಿನ್ನ ನಾಮಕ್ಕೆ ಭದಪಡುವ ದೊಡ್ಡವರಿಗೂ ಚಿಕ್ಕವರಿಗೂ
ಪ್ರತಿಫಲವನ್ನು ಕೊಟ್ಟು ಲೋಕವಾಶಕರನ್ನು ನಾಶಮಾಡುವೆ. ಎಂದು ಆತನನ್ನು ಆರಾಧಿಸಿದರು.
೧೯ ಆಗ ಪರಲೋಕದಲ್ಲಿರುವ ದೇವಾಲಯವು ತೆರೆಯಿತು. ಆತನ ಆಲಯದಲ್ಲಿ ಆತನ
ಒಡಂಬಡಿಕೆಯ ಮಂಜೂಷವು ಕಾಣಿಸಿದು. ಇದಲ್ಲದೆ ಮಿಂಚುಗಳು ವಾಣಿಗಳು ಗುಡುಗುಗಳು
ಭೂಕಂಪವೂ ದೊಡ್ಡ ಆನೆಕಲ್ಲಿನ ಮಳೆಯೂ ಉಂಟಾದವು.

### ಘಟಸರ್ಪವನ್ನೂ ಎರಡು ಮೃಗಗಳನ್ನು ಕುರಿತಿದ್ದು. ಘಟಸರ್ಪವು ತಜೋಮಯವಾದ ಸ್ತ್ರೀಯ ಕೂಸನ್ನು ನುಂಗುವದಕ್ಕೆ ಪ್ರಯತ್ನಿಸಿದ್ದು.

೧೨ ೧ ಪರಲೋಕದಲ್ಲಿ ಒಂದು ಮಹಾ ಲಕ್ಷಣವು ಕಾಣಿಸಿತು. ಅದೇನಂದರೆ ಸೂರ್ಯನನ್ನು
ಧರಿಸಿಕೊಂಡಿದ್ದ ಒಬ್ಬ ಸ್ತ್ರೀ ಇದ್ದಳು. ಆಕೆಯ ಕಾಲುಗಳ ಕೆಳಗೆ ಚಂದ್ರನಿದ್ದನು. ಆಕೆಯ
ತಲೆಯ ಮೇಲೆ ಹನ್ನೆರಡು ನಕ್ಷತ್ರಗಳುಳ್ಳ ಒಂದು ಕಿರೀಟವಿತ್ತು ೨ ಆಕೆಯು ಗರ್ಭಿಣಿಯಾಗಿದ್ದು
ಪ್ರಸವವೇಧವೆಯಿಂದ ಸಂಕಟಪಡುತ್ತಾ ಕೂಗುತ್ತಿದ್ದಳು. ೩ ಪರಲೋಕದಲ್ಲಿ ಮತ್ತೊಂದು ಲಕ್ಷಣವು
ಕಾಣಿಸಿತು. ಅದೇನಂದರೆ ಕೆಂಪಾದ ಮಹಾ ಘಟಸರ್ಪವಿತ್ತು ಅದಕ್ಕೆ ಏಳು ತಲೆಗಳೂ ಹತ್ತು
ಕೊಂಬುಗಳು ಇದ್ದವು. ಅದರ ತಲೆಗಳ ಮೇಲೆ ಏಳು ಮುಕುಟಗಳು ಇದ್ದವು. ೪ ಅದರ ಬಾಲವು
ಆಕಾಶದಲ್ಲಿರುವ ನಕ್ಷತ್ರಗಳೊಳಗೆ ಮೂರರಲ್ಲೊಂದು ಭಾಗವನ್ನು ಎಳೆದು ಭೂಮಿಗೆ ಹಾಕಿತು.
ಹೆರುತ್ತಿದ್ದ ಆ ಸ್ತ್ರೀಯು ಹೆತ್ತ ಕೂಡಲೆ ಆಕೆಯ ಮಗುವನ್ನು ನುಂಗಿಬಿಡಬೇಕೆಂದು ಆ ಘಟಸರ್ಪವು
ಅಲ್ಲೇ ಕಾದುಕೊಂಡಿತ್ತು. ೫ ಆಕೆ ಜನಾಂಗಗಳನ್ನು ಕಬ್ಬಿಣದ ಕೋಲಿನಿಂದ ಆಳಬೇಕಿದ ಒಂದು
ಗಂಡು ಮಗುವನ್ನು ಹೆತ್ತಳು. ಆ ಕೂಸು ಪಕ್ಕನೆ ದೇವರ ಬಳಿಗೂ ಆತನ ಸಿಂಹಾಸನದ ಬಳಿಗೂ
ಎತ್ತಲ್ಪಟ್ಟಿತು. ಆ ಸ್ತ್ರೀಯು ಅರಣ್ಯಕ್ಕೆ ಓಡಿಹೋದಳು. ೬ ಅಲ್ಲಿ ಆಕೆಗೆ ಸಾವಿರದ ಇನ್ನೂರ ಅರವತ್ತು
ದಿನಗಳ ವರೆಗೆ ಪೋಷಣೆಯಾಗಬೇಕೆಂದು ದೇವರು ಸ್ಥಳವನ್ನು ಸಿದ್ಧಮಾಡಿದನು.

### ಸೈತಾನನೆಂಬ ಘಟಸರ್ಪವು ಪರಲೋಕದಿಂದ ದೊಬ್ಬಲ್ಪಟ್ಟದ್ದು.

೭ ಪರಲೋಕದಲ್ಲಿ ಯುದ್ಧ ನಡೆಯಿತು. ಮೀಕಾಯೇಲನೂ ಅವನ ದೂತರೂ ಘಟಸರ್ಪನ
ಮೇಲೆ ಯುದ್ಧ ಮಾಡುವದಕ್ಕೆ ಹೊರಟರು. ಘಟಸರ್ಪನೂ ಅವನ ದೂತರೂ ಯುದ್ಧ ಮಾಡಿ
ಸೋತುಹೋದರು. ೮ ಮತ್ತು ಪರಲೋಕದೊಳಗೆ ಅವರಿಗೆ ಸ್ಥಾನವು ತಪ್ಪಿಹೋಯಿತು.
೯ ಭೂಲೋಕದವರನ್ನೆಲ್ಲಾ ಮರುಳುಗೊಳಿಸುವ ಆ ಮಹಾ ಘಟಸರ್ಪನು ಅಂದರೆ ಪಿಶಾಚನೆಂತಲೂ
ಸೈತಾನನೆಂತಲೂ ಹೆಸರುಳ್ಳ ಪುರಾತನ ಸರ್ಪವು ದೊಬ್ಬಲ್ಪಟ್ಟು ಭೂಮಿಗೆ ಬಿದ್ದನು. ಅವನ ದೂತರು
ಅವನಿಗೆ ದೊಬ್ಬಲ್ಪಟ್ಟರು.

೧೦ ಆಗ ಪರಲೋಕದಲ್ಲಿ ಮಹಾ ಶಬ್ದವನ್ನು ಕೇಳಿದೆನು. ಅದು, ಈಗ ಜಯವೂ ಶಕ್ತಿಯೂ
ರಾಜ್ಯವೂ ನಮ್ಮ ದೇವರಿಗೆ ಉಂಟಾಯಿತು. ಆತನು ಅಭಿಷೇಕಿಸಿದವನ ಅಧಿಕಾರವು ಈಗ
ಸ್ಥಾಪಿತವಾಯಿತು. ಹಗಲಿರುಳು ನಮ್ಮ ಸಹೋದರರ ಮೇಲೆ ನಮ್ಮ ದೇವರ ಮುಂದೆ ,
ದೂರು ಹೇಳಿದ ದೂರುಗಾರನು ದೊಬ್ಬಲ್ಪಟ್ಟಿದ್ದಾನೆ. ೧೧ ಅವರು ಪ್ರಾಣದ ಮೇಲಿನ ಪ್ರೀತಿಯನ್ನು
ತೊರೆದು ಮರಣಕ್ಕೆ ಹಿಂತೆಗೆಯದೇ ಯಜ್ಞದ ಕುರಿಯಾದಾತನ ರಕ್ತದ ಬಲದಿಂದಲೂ ಅವನನ್ನು
ಜಯಿಸಿದರು.
೧೨ ಪರಲೋಕವೇ ಅದರಲ್ಲಿ ವಾಸಮಾಡುವರೇ ಹರ್ಷಗೊಳ್ಳಿರಿ. ಭೂಮಿಯೇ ಸಮುದ್ರವೇ
ನಿಮ್ಮ ದುರ್ಗತಿಯನ್ನು ಏನು ಹೇಳಲಿ ಸೈತಾನನು ತನಗಿರುವ ಕಾಲವು ಸ್ವಲ್ಪವೆಂದು ತಿಳಿದು ಮಹಾ
ರೌದ್ರವುಳ್ಳವನಾಗಿ ನಿಮ್ಮ ಕಡೆಗೆ ಇಳಿದು ಬಂದಿದ್ದಾನೆ. ಎಂಬದಾಗಿ ಹೇಳಿತು.

## ಘಟಸರ್ಪವು ಆ ತೇಜೋಮಯವಾದ ಸ್ತ್ರೀಯನ್ನು ಹಿಂಸಿಸಿದ್ದು.

೧೩ ಘಟಸರ್ಪನು ತಾನು ದೊಬ್ಬಲ್ಪಟ್ಟು ಭೂಮಿಗೆ ಬಿದ್ದಿರುವದನ್ನು ಕಂಡು ಗಂಡು ಮಗುವನ್ನು
ಹೆತ್ತ ಸ್ತ್ರೀಯನ್ನು ಹಿಂಸಿಸುವದಕ್ಕೆ ಅಟ್ಟಿಕೊಂಡು ಹೋದನು ೧೪ ಆ ಸ್ತ್ರೀಯು ಅರಣ್ಯದಲ್ಲಿದ್ದ
ತನ್ನ ಸ್ಥಳಕ್ಕೆ ಹಾರಿಹೋಗುವದಕ್ಕಾಗಿ ಆಕೆಗೆ ದೊಡ್ಡ ಗರುಡಪಕ್ಷಿಯ ಎರಡು ರೆಕ್ಕೆಗಳು
ಕೊಡಲ್ಪಟ್ಟವು. ಅಲ್ಲಿ ಒಂದು ಕಾಲ ಎರಡು ಕಾಲ ಅರ್ಧ ಕಾಲ ಸರ್ಪನ ಮುಖಕ್ಕೆ ಮರೆಯಾಗಿ
ಪೋಷಣೆ ಹೊಂದುತ್ತಾಳೆ. ೧೫ ಆ ಸರ್ಪನು ಸ್ತ್ರೀಯನ್ನು ಬಡಿಸಿಕೊಂಡು ಹೋಗಬೇಕೆಂದು
ಆಕೆಯ ಹಿಂದೆ ತನ್ನ ಬಾಯೊಳಗಿಂದ ನೀರನ್ನು ನದಿಯಂತೆ ಬಿಟ್ಟನು. ೧೬ ಆದರೆ ಭೂಮಿಯು
ಆಸ್ತ್ರೀಯ ಸಹಾಯಕ್ಕೆ ಬಂದು ಬಾಯಿ ತೆರೆದು ಘಟಸರ್ಪನು ತನ್ನ ಬಾಯೊಳಗಿಂದ ಬಿಟ್ಟ
ನದಿಯನ್ನು ಕುಡಿದುಬಿಟ್ಟನು. ೧೭ ಆಗ ಘಟಸರ್ಪನು ಸ್ತ್ರೀಉ ಮೇಲೆ ಕೋಪಿಸಿಕೊಂಡು ಆಕೆಯ
ಸಂತಾನದವರಲ್ಲಿ ಉಳಿದವರ ಮೇಲೆ ಅಂದರೆ ದೇವರ ಆಜ್ಞೆಗಳನ್ನು ಕೈಕೊಂಡು ನಡೆದು
ಯೇಸುವಿನ ವಿಷಯವಾದ ಸಾಕ್ಷಿಯನ್ನು ಹೇಳಿರುವವರ ಮೇಲೆ ಯುದ್ಧಮಾಡುವದಕ್ಕೆ ಹೊರಟು
ಸಮುದ್ರ ತೀರದ ಮರಳಿನ ಮೇಲೆ ನಿಂತನು ೧೮

## ಸಮುದ್ರದೊಳಗಿಂದ ಬಂದ ಆಶ್ಚರ್ಯಕರವಾದ ಮೃಗವನ್ನು ಕುರಿತದ್ದು.

೧೩ ೧ ಸಮುದ್ರದಿಂದ ಮೃಗವು ಏರಿಬರುವದನ್ನು ಕಂಡೆನು. ಅದಕ್ಕೆ ಏಳು ತಲೆಗಳೂ
ಹತ್ತು ಕೊಂಬುಗಳೂ ಕೊಂಬುಗಳ ಮೇಲೆ ಹತ್ತು ಮುಕುಟಗಳೂತಲೆಯ ಮೇಲೆ
ದೇವದೂಷಣೆಯ ನಾಮಗಳು ಇದ್ದವು. ೨ ನಾನು ಕಂಡ ಮೃಗವು ಚಿರತೆಯಂತಿತ್ತು. ಅದರ
ಕಾಲುಗಳು ಕರಡಿಯ ಕಾಲುಗಳಂತೆಯೂ ಅದರ ಬಾಯಿ ಸಿಂಹದ ಬಾಯ್ತೆಯೂ ಇದ್ದವು.
ಅದಕ್ಕೆ ಘಟಸರ್ಪನು ಶಕ್ತಿಯನ್ನೂ ಸಿಂಹಾಸನವನ್ನೂ ಮಹಾ ಅಧಿಕಾರವನ್ನೂ ಕೊಟ್ಟನು.
೩ ಅದರ ತಲೆಗಳಲ್ಲಿ ಒಂದು ತಲೆ ಗಾಯ ಹೊಂದಿ ಸಾಯುವ ಹಾಗಿರುವದನ್ನು ಕಂಡೆನು.
ಆ ಮರಣಕರವಾದ ಗಾಯವು ವಾಸಿಯಾಯಿತು. ಭೂಲೋಕದವರೆಲ್ಲರೂ ಆ ಮೃಗವನ್ನು
ನೋಡುತ್ತಾ ಆಶ್ಚರ್ಯಪಟ್ಟರು. ೪ ಘಟಸರ್ಪನು ಆ ಮೃಗಕ್ಕೆ ಅಧಿಕಾರ ಕೊಟ್ಟದ್ದರಿಂದ ಅವರು
ಆ ಘಟಸರ್ಪಕ್ಕೆ ನಮಸ್ಕಾರ ಮಾಡುವವರಾದರು. ಇದಲ್ಲದೆ ಆ ಮೃಗಕ್ಕೂ ನಮಸ್ಕಾರ ಮಾಡಿ ಈ
ಮೃಗಕ್ಕೆ ಸಮಾನರು ಯಾರು? ಇದರ ಮೇಲೆ ಯುದ್ಧ ಮಾಡುವದಕ್ಕೆ ಯಾರು ಶಕ್ತರು? ಅಂದರು.
೫ ಬಡೆಯಿ ಮಾತುಗಳನ್ನೂ ದೂಷಣೆಯ ಮಾತುಗಳನ್ನೂ ಆಡುವ ಬಾಯಿ ಅದಕ್ಕೆ ಕೊಡಲ್ಪಟ್ಟತು.
ಮತ್ತು ನಾಲ್ವತ್ತೆರಡು ತಿಂಗಳು ಪರ್ಯಾಂತರ ತನ್ನ ಕಾರ್ಯಗಳನ್ನು ನಡಿಸುವ ಅಧಿಕಾರವೂ ಅದಕ್ಕೆ
ಕೊಡಲ್ಪಟ್ಟತು. ೬ ಅದು ಬಾಯಿ ತೆರೆದು ದೇವರನ್ನು ದೂಷಿಸಿದ್ದಲ್ಲದೆ ಆತನ ನಾಮವನ್ನು ಆತನ
ನಿವಾಸವನ್ನೂ ಪರಲೋಕ ನಿವಾಸಿಗಳನ್ನೂ ದೂಷಿಸಿತು. ೭ ಇದಲ್ಲದೆ ದೇವಜನರ ಮೇಲೆ
ಯುದ್ಧ ಮಾಡಿ ಅವರನ್ನು ಜಯಿಸುವದಕ್ಕೆ ಅದಕ್ಕೆ ಅಧಿಕಾರ ಕೊಡಲ್ಪಟ್ಟತು. ಮತ್ತು ಸಕಲ ಕುಲ
ಪ್ರಜೆ ಭಾಷೆ ಜನಾಂಗಗಳ ಮೇಲೆ ಅದಕ್ಕೆ ಅಧಿಕಾರ ಕೊಡಲ್ಪಟ್ಟತು. ೮ ಜಗದುತ್ಪತ್ತಿಗೆ ಮೊದಲೇ
ಕೊಯ್ಯಲ್ಪಟ್ಟ ಕುರಿಯಾದಾತನ ಬಳಿಯಲ್ಲಿರುವ ಜೀವಬಾಧ್ಯರ ಪಟ್ಟಿಯಲ್ಲಿ ಯಾರಾರ ಹೆಸರುಗಳು
ಬರೆದಿರುವದಿಲ್ಲವೋ ಆ ಭೂನಿವಾಸಿಗಳೆಲ್ಲರೂ ಅದಕ್ಕೆ ನಮಸ್ಕಾರ ಮಾಡುವರು ೯,೧೦
ಕಿವಿಯುಳ್ಳವನು ಕೇಳಲಿ. ಸೆರೆಹಿಡಿಯುವವನು ತಾನೇ ಸೆರೆಗೆ ಹೋಗುವನು. ಕತ್ತಿಯಿಂದ
ಕೊಲ್ಲುವನು ಕತ್ತಿಯಿಂದಲೇ ಸಾಯಬೇಕು. ಇದರಲ್ಲಿ ದೇವಜನರ ತಾಳ್ಮೆಯೂ ನಂಬಿಕೆಯೂ
ತೋರಿಬರುತ್ತದೆ.

### ಭೂಮಿಯೊಳಗಿಂದ ಬಂದ ಸುಳ್ಳು ಪ್ರವಾದಿಯೆಂಬ ಮೃಗವನ್ನು ಕುರಿತದ್ದು.

೧೧ ಮತ್ತೊಂದು ಮೃಗವು ಭೂಮಿಯೊಳಗಿಂದ ಬರುವದನ್ನು ಕಂಡೆನು. ಇದಕ್ಕೆ ಟಗರಿಗಿರುವಂತೆ
ಎರಡು ಕೊಂಬುಗಳಿದ್ದವು. ಘಟಸರ್ಪದಂತೆ ಮಾತಾಡಿತು. ೧೨ ಈ ಮೃಗದ ಮೊದಲನೆಯ ಮೃಗದ
ಅಧಿಕಾರವನ್ನೆಲ್ಲಾ ಅದರ ಸನ್ನಿಧಿಯಲ್ಲಿ ನಡಿಸುತ್ತದೆ. ಇದು ಮರಣಕರವಾದ ಗಾಯ ವಾಸಿಯಾದ
ಮೊದಲನೆಯ ಮೃಗಕ್ಕೆ ಭೂಲೋಕವೂ ನಿವಾಸಿಗಳೂ ನಮಸ್ಕರಿಸುವಂತೆ ಮಾಡುವಂತಾಗಿದೆ
೧೩ ಇದು ಮಹತ್ತಾದ ಸೂಚಕಕಾರ್ಯಗಳನ್ನು ನಡಿಸುತ್ತದೆ. ಜನರ ಮುಂದೆ ಬೆಂಕಿ ಆಕಾಶದಿಂದ
ಭೂಮಿಗೆ ಇಳಿದುಬರುವಂತೆಯಾದರೂ ಮಾಡುವದು. ೧೪ ಆ ಮೊದಲನೆಯ ಮೃಗದ
ಸನ್ನಿಧಿಯಲ್ಲಿ ಮಹತ್ಕಾರ್ಯಗಳನ್ನು ಮಾಡುವ ಅಧಿಕಾರವಿರುವದರಿಂದ ಭೂನಿವಾಸಿಗಳನ್ನು
ಮರಳುಗೊಳಿಸುತ್ತದೆ. ಅವರಿಗೆ ಕತ್ತಿಯಿಂದ ಗಾಯಹೊಂದಿ ಸಾಯದೆ ಬದುಕಿದ ಮೃಗದ
ಘನಕ್ಕಾಗಿ ವಿಗ್ರಹವನ್ನು ಮಾಡಿಸಿಕೊಳ್ಳಬೇಕೆಂದು ಬೋಧಿಸುತ್ತದೆ. ೧೫ ಇದಲ್ಲದೆ ಆ ಮೃಗದ
ವಿಗ್ರಹಕ್ಕೆ ಜೀವಕೊಡುವ ಸಾಮರ್ಥ್ಯವೂ ಇದಕ್ಕೆ ದೊರೆಯಿತು. ಆ ಮೃಗದ ವಿಗ್ರಹವು
ಮಾತಾಡುವದು. ತನಗೆ ನಮಸ್ಕರಿಸದವರೆಲ್ಲರಿಗೂ ಮರಣದಂಡನೆ ಆಗುವಂತೆ ಮಾಡುವದು.
೧೬ ಈ ಎರಡನೆಯ ಮೃಗವು ದೊಡ್ಡವರು ಚಿಕ್ಕವರು ಐಶ್ವರ್ಯವಂತರು ಬಡವರು ಸ್ವತಂತ್ರರು
ದಾಸರು ಎಲ್ಲರೂ ತಮ್ಮತಮ್ಮ ಬಲಗೈಯ ಮೇಲಾಗಲಿ ಹಣೆಯ ಮೇಲಾಗಲಿ ಗುರುತು
ಹೊಂದಬೇಕೆಂತಲೂ , ೧೭ ಆ ಗುರುತು ಯಾರಿಗಿಲ್ಲವೋ ಅವರು ಕ್ರಯ ವಿಕ್ರಯಗಳನ್ನು
ನಡಿಸಕೂಡದೆಂತಲೂ ಆಜ್ಞೆಮಾಡುತ್ತದೆ. ಆ ಗುರುತು ಯಾವದಂದರೆ ಮೊದಲನೆಯ ಮೃಗದ
ಹೆಸರು ಅಥವಾ ಅದರ ಹೆಸರನ್ನು ಸೂಚಿಸುವ ಅಂಕೆ.
೧೮ ಅದರಲ್ಲಿ ಜ್ಞಾನವು ಅಡಕವಾಗಿದೆ ಬುದ್ಧಿವಂತನು ಆ ಮೃಗದ ಅಂಕೆಯನ್ನು ಎಣಿಸಲಿ ಅದು
ಒಬ್ಬ ಮನುಷ್ಯನನ್ನು ಸೂಚಿಸುವ ಅಂಕೆಯಾಗಿದೆ. ಅದರ ಅಂಕೆಯು ಆರನೂರ ಅರುವತ್ತಾರು.

### ರಕ್ಷಣೆ ಹೊಂದಿದವರ ಉತ್ಸವಗೀತೆ ನಾಲ್ಕು ಪ್ರಕಟನೆಗಳು ಭೂಲೋಕದ ಸುಗ್ಗಿಕಾಲ ಇವುಗಳನ್ನು ಕುರಿತದ್ದು.

೧೪ ೧ ರಕ್ಷಣೆ ಹೊಂದಿದವರ ಉತ್ಸವಗೀತೆಯನ್ನು ಕುರಿತದ್ದು
ನಾನು ನೋಡಲಾಗಿ ಯಜ್ಞದ ಕುರಿಯಾದಾತನು ಚೀಯೋನ ಪರ್ವತದ ಮೇಲೆ
ನಿಂತಿರುವದನ್ನು ಕಂಡೆನು. ಆತನ ಜೊತೆಯಲ್ಲಿ ಒಂದು ಲಕ್ಷನಾಲ್ವತ್ತು ನಾಲ್ಕು ಸಾವಿರ
ಮಂದಿ ಇದ್ದರು. ಅವರವರ ಹಣೆಯ ಮೇಲೆ ಆತನ ಹೆಸರೂ ಆತನ ತಂದೆಯ ಹೆಸರೂ
ಬರೆಯಲ್ಪಟ್ಟಿದ್ದವು. ೨ ಇದಲ್ಲದೆ ಪರಲೋಕದ ಕಡೆಯಿಂದ ಜಲಪ್ರವಾಹದ ಘೋಷದಂತೆಯೂ
ದೊಡ್ಡ ಗುಡುಗಿನ ಶಬ್ದದಂತೆಯೂ ಇದ್ದ ಶಬ್ದವನ್ನು ಕೇಳಿದೆನು. ನಾನು ಕೇಳಿದ ಆ ಶಬ್ದವು.
ವೀಣೆಗಳನ್ನು ನುಡಿಸಿಕೊಂಡು ಹಾಡುತ್ತಿರುವ ವೀಣೆಗಾರರಶಬ್ದದಂತಿತ್ತು. ೩ ಅವರು ಸಿಂಹಾಸನದ
ಮುಂದೆಯೂ ಆ ನಾಲ್ಕು ಜೀವಿಗಳ ಮತ್ತು ಹಿರಿಯರ ಮುಂದೆಯೂ ಹೊಸ ಹಾಡನ್ನು ಹಾಡಿದರು.
ಬೂಲೋಕದೊಳಗಿಂದ ಕೊಂಡುಕೊಳ್ಳಲ್ಪಟ್ಟ ಆ ಲಕ್ಷದ ನಾಲ್ವತ್ತು ನಾಲ್ಕು ಸಾವಿರ ಜನರೇ ಹೊರತು
ಬೇರೆ ಯಾರೂ ಆ ಹಾಡನ್ನು ಕಲಿಯಲಾರರು ೪ ಸ್ತ್ರೀ ಸಹವಾಸದಿಂದ ಮಲಿನರಾಗದವರು ಇವರೇ
ಇವರು ಕನ್ಯರಂತೆ ನಿಷ್ಕಳಂಕರು ಯಜ್ಞದ ಕುರಿಯಾದಾತನು ಎಲ್ಲಿ ಹೋದರೂ ಇವರು ಆತನ ಹಿಂದೆ
ಹೋಗುವರು. ಇವರು ಮನುಷ್ಯರೊಳಗಿಂದ ಸ್ಕೀಯ ಜನರಾಗಿ ಕೊಂಡುಕೊಳ್ಳಲ್ಪಟ್ಟು ದೇವರಿಗೂ
ಯಜ್ಞದ ಕುರಿಯಾದಾತನಿಗೂ ಪ್ರಥಮಫಲದಂತಾದರು. ೫ ಇವರ ಬಾಯಲ್ಲಿ ಸುಳ್ಳು ಸಿಕ್ಕಲಿಲ್ಲ. ಇವರು
ನಿರ್ದೋಷಿಗಳಾಗಿದ್ದಾರೆ.

### ನಾಲ್ಕು ಪ್ರಕಟನೆಗಳು.

೬ ಮತ್ತೊಬ್ಬ ದೇವದೂತನು ಆಕಾಶದಲ್ಲಿ ಹಾರಿಹೋಗುವದನ್ನು ಕಂಡೆನು.
ಭೂನಿವಾಸಿಗಳಾಗಿರುವ ಸಕಲ ಜನಾಂಗ ಕುಲ ಪ್ರಜೆಗಳವರಿಗೂ ಸಾರಿಹೇಳುವದಕ್ಕೆ
ನಿತ್ಯವಾದ ಶುಭವರ್ತಮಾನವು ಅವನಲ್ಲಿತ್ತು. ೭ ಅವನು ನೀವೆಲ್ಲರೂ ದೇವರಿಗೆ ಭಯಪಟ್ಟು
ಆತನನ್ನು ಘನಪಡಿಸಿರಿ. ಆತನು ನ್ಯಾಯತೀರ್ಪು ಮಾಡುವ ಗಳಿಗೆಯು ಬಂದಿದೆ. ಭೂಲೋಕ
ಪರಲೋಕಗಳನ್ನೂ ಸಮುದ್ರವನ್ನೂ ನೀರಿನ ಬುಗ್ಗೆಗಳನ್ನೂ ಉಂಟುಮಾಡಿದಾತನಿಗೆ ನಮಸ್ಕಾರ
ಮಾಡಿರಿ. ಎಂದು ಮಹಾ ಶಬ್ದದಿಂದ ಹೇಳಿದನು.

೮ ಅವನ ಹಿಂದೆ ಎರಡನೆಯವನಾದ ಒಬ್ಬ ದೇವದೂತನು ಬಂದು ಬಿದ್ದಳು ಬಿದ್ದಳು ಬಾಬೆಲೆಂಬ
ಮಹಾ ನಗರಿಯು ಬಿದ್ದಳು ಆಕೆಯು ಸಕಲ ಜನಾಂಗಗಳಿಗೆ ತನ್ನ ಅತೀ ಜಾರತ್ವವೆಂಬ
ದ್ರಾಕ್ಷಾರಸವನ್ನು ಕುಡಿಸಿದಳು ಎಂದು ಹೇಳಿದನು. ೯ ಅವನ ಹಿಂದೆ ಮೂರನೆಯವನಾದ
ದೇವದೂತನು ಬಂದು ಯಾವನಾದರೂ ಮೊದಲನೆಯ ಮೃಗಕ್ಕೂ ಅದರ ವಿಗ್ರಹಕ್ಕೂ ನಮಸ್ಕಾರ
ಮಾಡಿ ತನ್ನ ಹಣೆಯ ಮೇಲಾಗಲಿ ಕೈಯ ಮೇಲಾಗಲಿ ಗುರುತುಹಾಕಿಸಿಕೊಂಡರೆ ಅವನೂ
ಸಹ ೧೦ ದೇವರ ಕೋಪವೆಂಬ ಪಾತ್ರೆಯಲ್ಲಿ ಏನೂ ಬೆರಸದೇ ಹಾಕಿದ ದೇವರ ರೌದ್ರವೆಂಬ
ದ್ರಾಕ್ಷಾರಸವನ್ನು ಕುಡುಯುವನು. ಪರಿಶುದ್ಧ ದೇವದೂತರ ಮುಂದೆಯೂ ಯಜ್ಞದ ಕುರಿಯಾದಾತನ
ಮುಂದೆಯೂ ಬೆಂಕಿಯಿಂದಲೂ ಗಂಧಕದಿಂದಲೂ ಯಾತನೆ ಪಡುವರು. ೧೧ ಅಂಥವರ
ಯಾತನೆಯ ಹೊಗೆಯು ಯುಗಯುಗಾಂತರಗಳಲ್ಲಿಯೂ ಏರುತ್ತಾ ಹೋಗುವದು. ಮೃಗಕ್ಕೆ
ಮತ್ತು ಅದರ ವಿಗ್ರಹಕ್ಕೆ ನಮಸ್ಕಾರ ಮಾಡುವವರೂ ಅದರ ಹೆಸರನ್ನು ಸೂಚಿಸುವ ಗುರುತನ್ನು
ಹಾಕಿಸಿಕೊಂಡಿರುವವರೆಲ್ಲರೂ ಹಗಲಿರುಳು ಉಪಶಮನವಿಲ್ಲದೆ ಯಾತನೆಪಡುವರು. ಎಂದು
ಮಹಾ ಶಬ್ದದಿಂದ ಹೇಳಿದನು. ೧೨ ಇದರಲ್ಲಿ ದೇವರ ಆಜ್ಞೆಗಳನ್ನು ಯೇಸುವಿನ ಮೇಲಣ
ನಂಬಿಕೆಯನ್ನೂ ಕೈಕೊಂಡು ನಡೆಯುತ್ತಿರುವ ದೇವಜನರ ತಾಳ್ಮೆಯು ತೋರಿಬರುತ್ತದೆ.
೧೩ ಪರಲೋಕದಿಂದ ಒಂದು ಶಬ್ದವು ನನಗೆ ಕೇಳಿಸಿತು. ಅದು – ಇಂದಿನಿಂದ ಕರ್ತನ ಭಕ್ತರಾಗಿ
ಸಾಯುವವರು ಧನ್ಯರು ಎಂಬದಾಗಿ ಬರೆ ಎಂದು ನನಗೆ ಹೇಳಿತು. ಅದಕ್ಕೆ ಆತ್ಮನು – ಹೌದು ಅವರು
ಧನ್ಯರೈ. ಅವರ ಕಷ್ಟ ತೀರಿತು ಅವರಿಗೆ ವಿಶ್ರಾಂತಿಯಾಗುವದು. ಅವರ ಸುಕೃತ್ಯಗಳು ಅವರೊಡನೆ
ಬರುವವು. ಎಂದು ಹೇಳುತ್ತಾನೆ.

## ಭೂಲೋಕದ ಸುಗ್ಗಿಕಾಲವನ್ನು ಕುರಿತದ್ದು.

೧೪ ನಾನು ನೋಡಲಾಇ ಇಗೋ ಪ್ರಕಾಶಮಾನವಾದ ಒಂದು ಮೇಘವು ಕಾಣಸಿತು. ಆ ಮೇಘದ
ಮೇಲೆ ಮನುಷ್ಯಕುಮಾರನಂತಿದ್ದವನೊಬ್ಬನು ಕೂತಿರುವದನ್ನು ಕಂಡೆನು. ಆತನ ತಲೆಯ ಮೇಲೆ
ಚಿನ್ನದ ಕೀರಿಟವೂ ಆತನ ಕೈಯಲ್ಲಿ ಹದವಾದ ಕುಡುಗೋಲೂ ಇದ್ದವು. ೧೫ ಆಗ ದೂತನಾದ
ಮತ್ತೊಬ್ಬನು ದೇವಾಲಯದೊಳಗಿಂದ ಬಂದು ಮೇಘದ ಮೇಲೆ ಕುಳಿತಿದ್ದಾತನಿಗೆ – ಭೂಮಿಯ
ಪೈರು ಮಾಗಿ ಒಣಗಿದೆ. ಕೊಯ್ಯುವ ಕಾಲ ಬಂತು. ನಿನ್ನ ಕುಡುಗೋಲು ಹಾಕಿ ಕೊಯ್ಯಿ ಎಂದು
ಮಹಾ ಶಬ್ದದಿಂದ ಕೂಗಿದನು. ೧೬ ಮೇಘದ ಮೇಲೆ ಕುಳಿತಿದ್ದಾತನು ತನ್ನ ಕುಡುಗೋಲನ್ನು
ಹಾಕಿಭೂಮಿಯ ಪೈರನ್ನು ಕೊಯ್ಯದನು. ಭೂಮಿಯ ಪೈರು ಕೊಯ್ಯಲ್ಪಟ್ಟಿತು.
೧೭ ಮತ್ತೊಬ್ಬ ದೇವದೂತನು ಪರಲೋಕದಲ್ಲಿರುವ ದೇವಾಲಯದೊಳಗಿಂದ ಬಂದನು. ಅವನಲ್ಲಿ
ಸಹ ಹದವಾದ ಕುಡುಗೋಲು ಇತ್ತು. ೧ತರುವಾಯ ಬೆಂಕಿಗೆ ಅಧಿಕಾರಿಯಾದ ಇನ್ನೊಬ್ಬ ದೂತನು
ಯಜ್ಞವೇದಿಯ ಬಳಿಯಿಂದ ಬಂದು ಆ ಹದವಾದ ಕುಡುಗೋಲಿನವನಿಗೆ – ನಿನ್ನ ಹದವಾದ
ಕುಡುಗೋಲನ್ನು ಹಾಕಿ ಭೂಮಿಯ ದ್ರಾಕ್ಷೇಗೊಂಚಲುಗಳನ್ನು ಕೊಯ್ಯಿ. ಅದರ ಹಣ್ಣುಗಳು ಪೂರಾ
ಮಾಗಿವೆ ಎಂದು ಮಹಾ ಶಬ್ದದಿಂದ ಕೂಗಿದನು. ೧೯ ಆಗ ಆ ದೂತನು ತನ್ನ ಕುಡುಗೋಲನ್ನು
ಭೂಮಿಗೆ ಹಾಕಿ ಭೂಮಿಯ ದ್ರಾಕ್ಷೇಬಳ್ಳಿಯ ಹಣ್ಣನ್ನು ಕೊಯಿದು ದೇವರ ರೌದ್ರವೆಂಬ ದೊಡ್ಡ
ತೊಟ್ಟಿಯಲ್ಲಿ ಹಾಕಿದನು. ೨೦ ಅದನ್ನು ಆ ಪಟ್ಟಣದ ಹೊರಗೆ ಆ ತೊಟ್ಟಿಯಲ್ಲಿ ತುಳಿದರು. ಆ
ತೊಟ್ಟಿಯೊಳಗಿಂದ ರಕ್ತವು ಹೊರಟು ಕುದುರೆಗಳ ಕಡಿವಾಣಗಳನ್ನು ಮುಟ್ಟುವಷ್ಟು ಆಳವಾಗಿ
ಇನ್ನೂರು ಮೈಲಿ ದೂರ ಹರಿಯಿತು.

## ಏಳು ಉಪದ್ರವಗಳನ್ನು ಕುರಿತಿದ್ದು.

೧೫ ೧ ಪರಲೋಕದಲ್ಲಿ ಆಶ್ಚರ್ಯಕರವಾದ ಮತ್ತೊಂದು ಮಹಾ ಲಕ್ಷಣವು ನನಗೆ ಕಾಣಿಸಿತು
ಏಳು ಮಂದಿ ದೇವದೂತರ ಕೈಯಲ್ಲಿ ಏಳು ಉಪದ್ರವಗಳಿದ್ದವು ಇವು ಕಡೇ ಉಪದ್ರವಗಳು
ಇವುಗಳಲ್ಲಿ ದೇವರ ರೌದ್ರವು ಮುಗಿದಿರುವದು.

## ಮೃಗದ ಮೇಲೆ ಜಯಹೊಂದಿದವರ ಗೀತ

೨ ಬೆಂಕಿ ಬೆರೆದ ಗಾಜಿನ ಸಮುದ್ರವೋ ಎಂಬಂತೆ ಏನೋ ಒಂದು ನನಗೆ
ಕಾಣಿಸಿತು. ಆಗ ಮೃಗದ ವಿಗ್ರಹಕ್ಕೆ ನಮಸ್ಕರಿಸದೆಯೂ ಅದರ ಹೆಸರಿನ ಅಂಕೆಯನ್ನು
ಮುದ್ರೆಹಾಕಿಸಿಕೊಳ್ಳದೆಯೂ ಅದರ ಮೇಲೆ ಜಯ ಹೊಂದಿದವರು ದೇವರ ಸೇವಾರ್ಥವಾದ
ವೀಣೆಗಳನ್ನು ಕೈಯಲ್ಲಿ ಹಿಡುಕೊಂಡು ಗಾಜಿನ ಸಮುದ್ರದ ಬಳಿಯಲ್ಲಿ ನಿಂತು ೩ ದೇವರ

ದಾಸನಾದ ಮೋಶೆಯ ಹಾಡನ್ನು ಯಜ್ಞದ ಕುರಿಯಾದಾತನ ಹಾಡನ್ನೂ ಹಾಡುತ್ತಾ – ದೇವರಾದ
ಕರ್ತನೇ ಸರ್ವಶಕ್ತನೇ ನಿನ್ನ ಕೃತ್ಯಗಳು ಮಹತ್ತಾದವುಗಳೂ ಆಶ್ಚರ್ಯಕರವಾದವುಗಳೂ ಆಗಿವೆ.
ಸರ್ವಜನಾಂಗಗಳ ಅರಸನೇ ನಿನ್ನ ಮಾರ್ಗಗಳು ನ್ಯಾಯವೂ ಸತ್ಯವೂ ಆಗಿವೆ. ೪ ಕರ್ತನೇ ನಿನ್ನ
ನಾಮಕ್ಕೆ ಭಯಪಡದವರೂ ಅದನ್ನು ಘನವಾದದ್ದನ್ನು ಒಪ್ಪಿಕೊಳ್ಳದವರೂ ಯಾರಾದರೂ ಇದ್ದಾರೆ?
ನೀನೊಬ್ಬನೇ ಪರಿಶುದ್ದನು. ನಿನ್ನ ನೀತಿಯುಳ್ಳ ಕೃತ್ಯಗಳು ಪ್ರಕಾಶಕ್ಕೆ ಬಂದದ್ದರಿಂದ ಎಲ್ಲಾ
ಜನಾಂಗಗಳು ಬಂದು ನಿನ್ನ ಸನ್ನಿಧಾನದಲ್ಲಿ ನಮಸ್ಕಾರ ಮಾಡುವರು. ಎಂದು ಹೇಳಿದರು.

ಏಳು ಉಪದ್ರವಗಳು ದೇವವಿರೋಧಿಗಳಿಗೆ ಉಂಟಾದದ್ದು.

೫ ಇದಾದ ಮೇಲೆ ನಾನು ನೋಡಿದಾಗ ಪರಲೋಕದಲ್ಲಿರುವ ದೇವದರ್ಶನ ಗುಡಾರದ ಪವಿತ್ರ
ಸ್ಥಾನವು ತೆರೆಯಿತು. ೬ ಅದರೊಳಗಿಂದ ಏಳು ಉಪದ್ರವಗಳನ್ನು ಕೈಯಲ್ಲಿ ಹಿಡಿದಿರುವ ಆ
ಏಳು ಮಂದಿ ದೇವದೂತರು ಬಂದರು. ಅವರು ಪ್ರಕಾಶವೂ ನಿರ್ಮಲವೂ ಆದ ನಾರುಮಡಿಯನ್ನು
ಧರಿಸಿಕೊಂಡಿದ್ದರು. ತಮ್ಮ ಎದೆಗಳಿಗೆ ಚಿನ್ನದ ಪಟ್ಟಿಯನ್ನು ಕಟ್ಟಿಕೊಂಡಿದ್ದರು. ೭ ನಾಲ್ಕು
ಜೀವಿಗಳಲ್ಲಿ ಒಂದು ಆ ಏಳು ಮಂದಿ ದೇವದೂತರಿಗೆ ಯುಗಯುಗಾಂತರಗಳಲ್ಲಿಯೂ
ಜೀವಿಸುವಾತನಾದ ದೇವರ ರೌದ್ರದಿಂದ ತುಂಬಿದ್ದ ಏಳು ಚಿನ್ನದ ಪಾತ್ರೆಗಳನ್ನು ಕೊಟ್ಟಿತು.
೮ ದೇವರ ತೇಜಸ್ಸಾನ್ನಿಧ್ಯದಿಂದಲೂ ಆತನ ಶಕ್ತಿಯಿಂದಲೂ ಉಂಟಾದ ಹೊಗೆಯಿಂದ ಪವಿತ್ರ
ಸ್ಥಾನವು ತುಂಬಿದ ಕಾರಣ ಆ ಏಳು ಮಂದಿ ದೇವದೂತರ ಕೈಯಲ್ಲಿದ್ದ ಏಳು ಉಪದ್ರವಗಳು ತೀರುವ
ತನಕ ಆ ಪವಿತ್ರ ಸ್ಥಾನದೊಳಗೆ ಪ್ರವೇಶಿಸುವದಕ್ಕೆ ಯಾರಿಂದಲೂ ಆಗಲಿಲ್ಲ.

೧೬ ೧ ಆಗ ಪವಿತ್ರ ಸ್ಥಾನದಿಂದ ಬಂದ ಮಹಾ ಶಬ್ದವನ್ನು ಕೇಳಿದೆನು. ಅದು ಆ ಏಳು ಮಂದಿ
ದೇವದೂತರಿಗೆ – ನೀವು ಹೋಗಿ ಆ ಏಳು ಪಾತ್ರೆಗಳಲ್ಲಿರುವ ದೇವರ ರೌದ್ರವನ್ನು
ಭೂಮಿಯ ಮೇಲೆ ಹೊಯ್ಯಿರಿ ಎಂದು ಹೇಳಿತು.
೨ ಆಗ ಮೊದನೆಯವನು ಹೊರಟು ತನ್ನ ಪಾತ್ರೆಯಲ್ಲಿದ್ದದ್ದನ್ನು ಭೂಮಿಗೆ ಹೊಯಿದನು.
ಕೂಡಲೇ ಮೊದಲನೆಯ ಮೃಗದ ಗುರುತನ್ನು ಹೊಂದಿ ಅದರ ವಿಗ್ರಹಕ್ಕೆ ನಮಸ್ಕಾರ ಮಾಡುವ
ಮನುಷ್ಯರ ಮೈಮೇಲೆ ಕೆಟ್ಟ ಉರಿಹುಣ್ಣು ಎದ್ದಿತು.
೩ ಎರಡನೆಯವನು ತನ್ನ ಪಾತ್ರೆಯಲ್ಲಿದ್ದದ್ದನ್ನು ಸಮುದ್ರದ ಮೇಲೆ ಹೊಯಿದನು. ಅದರ ನೀರು
ಸತ್ತವನ ರಕ್ತದ ಹಾಗಾಯಿತು. ಮತ್ತು ಸಮುದ್ರದಲ್ಲಿದ್ದ ಜೀವಜಂತುಗಳೆಲ್ಲವು ಸತ್ತುಹೋದವು.
೪ ಮೂರನೆಯವನು ತನ್ನ ಪಾತ್ರೆಯಲ್ಲಿದ್ದದ್ದನ್ನು ನದಿಗಳ ಮೇಲೆಯೂ ನೀರಿನ ಬುಗ್ಗೆಗಳ
ಮೇಲೆಯೂ ಹೊಯಿದನು. ಅವುಗಳ ನೀರು ರಕ್ತವಾಯಿತು.
೫ ಆ ಮೇಲೆ ಜಲಾಧಿಪತಿಯಾದ ದೂತನು – ಸದಾ ಇರುವಾತನೇ ಪರಿಶುದ್ದನೇ ನೀನು ಹೀಗೆ
ತೀರ್ಪು ಮಾಡಿದ್ದರಲ್ಲಿ ನೀತಿ ಸ್ವರೂಪನಾಗಿದ್ದೀ. ೬ ಅವರು ದೇವಜನರ ಮತ್ತು ಪ್ರವಾದಿಗಳ
ರಕ್ತವನ್ನು ಸುರಿಸಿದರು. ನೀನು ಅವರಿಗೆ ರಕ್ತವನ್ನೇ ಕುಡಿಯುವದಕ್ಕೆ ಕೊಟ್ಟಿದ್ದೀ ಇದಕ್ಕೆ ಅವರು
ಪಾತ್ರರು. ಎಂದು ಹೇಳುವದನ್ನು ಕೇಳಿದೆನು. ೭ ಆ ಮೇಲೆ ಯಜ್ಞವೇದಿಯು ಮಾತಾಡುತ್ತಾ
ದೇವರಾದ ಕರ್ತನೇ ಸರ್ವಶಕ್ತನೇ, ನಿನ್ನ ನ್ಯಾಯತೀರ್ಪುಗಳು ಸತ್ಯವೂ ನ್ಯಾಯವೂ ಆಗಿವೆ ನಿಜ
ಎಂದು ಹೇಳುವದನ್ನು ಕೇಳಿದೆನು.
೮ ನಾಲ್ಕನೆಯವನು ತನ್ನ ಪಾತ್ರೆಯಲ್ಲಿದ್ದದ್ದನ್ನು ಸೂರ್ಯನ ಮೇಲೆ ಹೊಯಿದನು. ಆಗ
ಸೂರ್ಯನಿಗೆ ಕಡುಬಿಸಿಲಿನಿಂದ ಮನುಷ್ಯರನ್ನು ಕಂದಿಸುವ ಶಕ್ತಿಯು ಕೊಡಲ್ಪಟ್ಟಿತು.
೯ ಮನುಷ್ಯರು ಬಲವಾದ ಕಾವಿನಿಂದ ಕಂದಿಹೋದರೂ ಅವರು ದೇವರನ್ನುಘನಪಡಿಸುವ ಹಾಗೆ
ಮಾನಸಾಂತರ ಮಾಡಿಕೊಳ್ಳದೇ ಈ ಉಪದ್ರವಗಳ ಮೇಲೆ ಅಧಿಕಾವುಳ್ಳ ದೇವರ ನಾಮವನ್ನು
ದೂಷಿಸಿದರು.
೧೦ ಐದನೆಯವನು ತನ್ನ ಪಾತ್ರೆಯಲ್ಲಿದ್ದದ್ದನ್ನು ಮೊದಲನೆಯ ಮೃಗದ ಸಿಂಹಾಸನದ ಮೇಲೆ
ಹೊಯ್ಯಲು ಅದರ ರಾಜ್ಯವು ಕತ್ತಲಾಯಿತು. ಜನರು ತಮಗಾದ ಕಷ್ಟದ ದೆಸೆಯಿಂದ ತಮ್ಮ
ನಾಲಿಗೆಗಳನ್ನು ಕಚ್ಚಿಕೊಂಡು , ೧೧ ತಮ್ಮ ಕೃತ್ಯಗಳ ವಿಷಯದಲ್ಲಿ ಮಾನಸಾಂತರ ಮಾಡಿಕೊಳ್ಳದೆ
ತಮ್ಮ ಕಷ್ಟಗಳ ದೆಸೆಯಿಂದಲೂ ಹುಣ್ಣುಗಳ ದೆಸೆಯಿಂದಲೂ ಪರಲೋಕ ದೇವರನ್ನು
ದೂಷಿಸಿದರು.
೧೨ ಆರನೆಯವನು ತನ್ನ ಪಾತ್ರೆಯಲ್ಲಿದ್ದದ್ದನ್ನು ಯೂಫ್ರೇಟಿಸ ಎಂಬ ಮಹಾ ನದಿಯ ಮೇಲೆ
ಹೊಯ್ಯಲು ಅದರ ನೀರು ಇಂಗಿಹೋಯಿತು. ಇದರಿಂದ ಮೂಡಣ ದಿಕ್ಕಿನಿಂದ ಬರುವ ರಾಜರಿಗೆ
ಮಾರ್ಗವು ಸಿದ್ದವಾಯಿತು. ೧೩ ಮತ್ತು ಘಟಸರ್ಪ ಮೃಗ ಸುಳ್ಳುಪ್ರವಾದಿ ಇವರ ಬಾಯಿಗಳಿಂದ

ಕಪ್ಪೆಗಳಂತಿದ್ದ ಮೂರು ಅಶುದ್ಧಾತ್ಮಗಳು ಬರುವದನ್ನು ಕಂಡೆನು. ೧೪ ಇವು ಮಹತ್ಕಾರ್ಯಗಳನ್ನು
ಮಾಡುವ ದೆವ್ವಗಳು ಭೂಲೋಕದಲ್ಲೆಲ್ಲೆಲ್ಲಿಯೂ ಇರುವ ರಾಜರ ಬಳಿಗೆ ಹೋಗಿ ಸರ್ವಶಕ್ತನಾದ
ದೇವರ ಮಹಾ ದಿನದಲ್ಲಾಗುವ ಯುದ್ಧಕ್ಕೆ ಅವರನ್ನು ಕೂಡಿಸುವವು. ೧೫ ಇಗೋ ಕಳ್ಳನು ಬರುವಂತೆ
ಬರುತ್ತೇನೆ. ತಾನು ನಿರ್ವಾಣನಾಗಿ ತಿರುಗಾಡಿ ಅವಮಾನಕ್ಕೆ ಗುರಿಯಾದೇನೆಂದು ಎಚ್ಚರವಾಗಿದ್ದು
ತನ್ನ ವಸ್ತ್ರಗಳನ್ನು ಕಾಪಾಡಿಕೊಳ್ಳುವವನು ಧನ್ಯನು. ೧೬ ಆ ದೆವ್ವಗಳು ಭೂ ರಾಜರನ್ನು ಇಬ್ರಿಯ
ಭಾಷೆಯಲ್ಲಿ ಹರ್ಮಗೆದೋನ ಎಂಬ ಹೆಸರುಳ್ಳ ಸ್ಥಳಕ್ಕೆ ಕೂಡಿಸಿದವು.
೧೭ ಏಳನೆಯವನು ತನ್ನ ಪಾತ್ರೆಯಲ್ಲಿದ್ದದ್ದನ್ನು ವಾಯುಮಂಡಲದ ಮೇಲೆ ಹೊಯ್ಯಲು
ದೇವಾಲಯದಲ್ಲಿರುವ ಸಿಂಹಾಸನದ ಕಡೆಯಿಂದ ಮಹಾ ಶಬ್ದವು ಉಂಟಾಗಿ ಆಯಿತು
ಎಂದು ಹೇಳಿತು. ೧೮ ಆಗ ಮಿಂಚುಗಳೂ ವಾಣಿಗಳೂ ಗುಡುಗುಗಳೂ ಉಂಟಾದವು ಇದಲ್ಲದೆ
ಮಹಾ ಭೂಕಂಪವಾಯಿತು. ಮನುಷ್ಯರು ಭೂಮಿಯ ಮೇಲೆ ಇದ್ದಂದಿನಿಂದ ಅಂಥ ದೊಡ್ಡ
ಭೂಕಂಪವಾಗಲಿಲ್ಲ. ೧೯ ಮಹಾ ಪಟ್ಟಣವು ಮೂರು ಭಾಗವಾಯಿತು. ಜನಾಂಗಗಳ ಪಟ್ಟಣಗಳು
ಬಿದ್ದವು. ಇದಲ್ಲದೆ ದೇವರು ದೊಡ್ಡ ಬಾಬೆಲನ್ನು ಜ್ಞಾಪಿಸಿಕೊಂಡು ತನ್ನ ಉಗ್ರ ಕೋಪವೆಂಬ
ದ್ರಾಕ್ಷಾರಸದ ಪಾತ್ರೆಯನ್ನು ಅವಳಿಗೆ ಕುಡುಯ ಕೊಟ್ಟನು. ಆಗ ದ್ವೀಪಗಳೆಲ್ಲಾ ಓಡಿಹೋದವು
೨೦ ಆಗ ದ್ವೀಪಗಳೆಲ್ಲಾ ಓಡಿಹೋದವು. ಬೆಟ್ಟಗಳು ಸಿಕ್ಕದೇ ಹೋದವು. ೨೧ ಮತ್ತು ಆಕಾಶದಿಂದ
ಮನುಷ್ಯರ ಮೇಲೆ ದೊಡ್ಡ ಆನೇಕಲ್ಲಿನ ಮಳೆ ಸುರಿಯಿತು. ಒಂದೊಂದು ಕಲ್ಲು ಹೆಚ್ಚು ಕಡಿಮೆ
ನಾಲ್ಕು ಮಣ ತೂಕವಾಗಿತ್ತು ಆ ಆನೇಕಲ್ಲಿನ ಮಳೆಯ ಕಾಟವು ಬಹಳ ಹೆಚ್ಚಾಗಿದ್ದದರಿಂದ ಆ
ಮಳೆಯಲ್ಲಿ ಸಿಕ್ಕಿಕೊಂಡ ಮನುಷ್ಯರು ದೇವರನ್ನು ದೂಷಿಸಿದರು.

ಕ್ರಿಸ್ತವಿರೋಧಿಗಳ ನಾಶವನ್ನು ಕುರಿತಿದ್ದು ಬಾಬೆಲೆಂಬ ಜಾರಸ್ತ್ರೀಯ ನಾಶವು.

೧೭ ೧ ಏಳು ಪಾತ್ರೆಗಳನ್ನು ಹಿಡಿದಿದ್ದ ಏಳು ಮಂದಿ ದೇವದೂತರಲ್ಲಿ ಒಬ್ಬನು ಬಂದು
ನನ್ನ ಸಂಗಡ ಮಾತಾಡಿ – ಬಾ ಬಹಳ ನೀರುಗಳ ಮೇಲೆ ವಾಸಿಸಿರುವ ಮಹಾ
ಜಾರಸ್ತ್ರೀಗೆ ಬರುವ ದಂಡನೆಯನ್ನು ನಿನಗೆ ತೋರಿಸುತ್ತೇನೆ. ೨ ಅವಳೊಂದಿಗೆ ಭೂರಾಜರು
ಜಾರತ್ವ ಮಾಡಿದರು. ಮತ್ತುಭೂನಿವಾಸಿಗಳು ಅವಳ ಜಾರತ್ವವೆಂಬ ದ್ರಾಕ್ಷಾರಸವನ್ನು ಕುಡಿದು
ಮತ್ತರಾದರು ಎಂದು ಹೇಳಿದನು. ೩ ಆಗ ಅವನು ದೇವರಾತ್ಮವಶನಾದ ನನ್ನನ್ನು ಎತ್ತಿಕೊಂಡು
ಅಡವಿಗೆ ಹೋದನು. ಅಲ್ಲಿ ನಾನು ರಕ್ತವರ್ಣದ ಮೃಗದ ಮೇಲೆ ಕೂತಿದ್ದ ಒಬ್ಬ ಸ್ತ್ರೀಯನ್ನು
ಕಂಡೆನು. ಆ ಮೃಗದ ಮೈಮೇಲೆಲ್ಲಾ ದೇವದೂಷಣೆಯ ಹೆಸರುಗಳು ತುಂಬಿದ್ದವು. ೪ ಅದಕ್ಕೆ
ಏಳು ತಲೆಗಳೂ ಹತ್ತು ಕೊಂಬುಗಳೂ ಇದ್ದವು. ಆ ಸ್ತ್ರೀಯು ಧೂಮ್ರವರ್ಣದ ವಸ್ತ್ರಗಳನ್ನೂ
ರಕ್ತಾಂಬರವನ್ನೂ ಧರಿಸಿಕೊಂಡು ಚಿನ್ನ ರತ್ನ ಮುತ್ತು ಇವುಗಳಿಂದ ಅಲಂಕರಿಸಿಕೊಂಡಿದ್ದಳು
ಅವಳ ಕೈಯಲ್ಲಿ ಒಂದು ಚಿನ್ನದ ಬಟ್ಟಲು ಇತ್ತು. ಅದು ಅಸಹ್ಯವಾದವುಗಳಿಂದ ಅಂದರೆ
ಅವಳ ಜಾರತ್ವಸಂಬಂಧವಾದ ಅಶುದ್ಧ ವಸ್ತುಗಳಿಂದ ತುಂಬಿತ್ತು. ೫ ಅವಳ ಹಣೆಯ ಮೇಲೆ
ಬಾಬೆಲೆಂಬ ಮಹಾ ನಗರಿ ಭೂಮಿಯಲ್ಲಿರುವ ಜಾರಸ್ತ್ರೀಯರಿಗೂ ಅಸಹ್ಯವಾದ ಕಾರ್ಯಗಳಿಗೂ
ತಾಯಿ ಎಂದು ಗೂಢಾರ್ಥವುಳ್ಳ ಹೆಸರು ಬರೆದಿತ್ತು. ೬ ಆ ಸ್ತ್ರೀಯು ದೇವಜನರ ರಕ್ತವನ್ನೂ
ಯೇಸುವಿಗೋಸ್ಕರ ಸಾಕ್ಷಿಕೊಟ್ಟ ಹತರಾದವರ ರಕ್ತವನ್ನೂ ಕುಡಿದು ಮತ್ತಳಾಗಿರುವದನ್ನು
ಕಂಡೆನು. ನಾನು ಅವಳನ್ನು ನೋಡಿ ಅತ್ಯಾಶ್ಚರ್ಯಪಟ್ಟೆನು. ೭ ಆಗ ಆ ದೇವದೂತನು ನನಗೆ
ಹೇಳಿದ್ದು - ನೀನೇಕೆ ಆಶ್ಚರ್ಯಪಟ್ಟೆ? ಆ ಸ್ತ್ರೀಯಿಂದಲೂ ಅವಳ ವಾಹನವಾಗಿದ್ದು ಏಳು
ತಲೆಗಳೂ ಹತ್ತು ಕೊಂಬುಗಳೂಉಳ್ಳ ಮೃಗದಿಂದಲೂ ಸೂಚಿತವಾದ ಗೂಢಾರ್ಥವನ್ನು ನಾನು
ನಿನಗೆ ವಿವರಿಸುತ್ತೇನೆ. ೮ ನೀನು ಕಂಡ ಆ ಮೃಗವು ಮೊದಲು ಇತ್ತು. ಈಗ ಇಲ್ಲ. ಮತ್ತು
ಅಧೋಲೋಕದಿಂದ ಏರಿ ಬಂದು ನಾಶಕ್ಕೆ ಹೋಗುವದು. ಭೂನಿವಾಸಿಗಳೊಳಗೆ ಯಾರಾರ
ಹೆಸರುಗಳು ಲೋಕಾದಿಯಿಂದ ಜೀವಭಾದ್ಯರ ಪಟ್ಟಿಯಲ್ಲಿ ಬರೆದಿರುವದಿಲ್ಲವೋ ಅವರು ಈ
ಮೃಗವನ್ನು ನೋಡಿ ಇದು ಮೊದಲು ಇತ್ತು ಈಗ ಇಲ್ಲ ಇನ್ನು ಮೇಲೆ ಬರುವದು ಎಂದು ತಿಳಿದು
ಆಶ್ಚರ್ಯಪಡುವರು. ೯ ಇದು ಬುದ್ದಿವಂತನಿಗೆ ಮಾತ್ರ ಗೊತ್ತಾಗುವದು. ಆ ಏಳು ತಲೆಗಳು ಆ
ಸ್ತ್ರೀ ಕೂತುಕೊಂಡಿರುವ ಏಳು ಬೆಟ್ಟಗಳೇ. ೧೦ ಇದಲ್ಲದೆ ಅವು ಏಳು ಮಂದಿ ಅರಸುಗಳನ್ನು
ಸೂಚಿಸುತ್ತವೆ. ಅದರಲ್ಲಿ ಐದು ಮಂದಿ ಹೋಗಿದ್ದಾರೆ. ಒಬ್ಬನು ಇದ್ದಾನೆ. ಮತ್ತೊಬ್ಬನು ಇನ್ನು
ಬಂದಿಲ್ಲ. ಬಂದ ಮೇಲೆ ಅವನು ಸ್ವಲ್ಪ ಕಾಲ ಇರಬೇಕು. ೧೧ ಮೊದಲಿದ್ದು ಈಗ ಇಲ್ಲದಿರುವ ಆ
ಮೃಗವು ತಾನೇ ಎಂಟನೆಯ ಅರಸು. ಅವನು ಆ ಏಳು ಮಂದಿ ಅರಸುಗಳಿಗೆ ಸೇರಿದವನು.
ನಾಶಕ್ಕೆ ಹೋಗುವನು. ೧೨ ನೀನು ಕಂಡ ಆ ಹತ್ತು ಕೊಂಬುಗಳು ಅಂದರೆ ರಾಜ್ಯವನ್ನು ಇನ್ನು

ಹೊಂದಿರುವ ಹತ್ತು ಮಂದಿ ಅರಸುಗಳು. ಅವರು ಒಂದು ಗಳಿಗೆಯ ವರೆಗೆ ರಾಜರಂತೆ ಆಳುವ
ಅಧಿಕಾರವನ್ನು ಮೃಗದೊಂದಿಗೆ ಹೊಂದುತ್ತಾರೆ. ೧೩ ಅವರು ಒಂದೇ ಅಭಿಪ್ರಾಯವುಳ್ಳವರಾಗಿದ್ದು
ತಮ್ಮ ಶಕ್ತಿಯನ್ನೂ ಅಧಿಕಾರವನ್ನೂ ಮೃಗಕ್ಕೆ ಕೊಡುತ್ತಾರೆ. ೧೪ ಅವರು ಯಜ್ಞದ ಕುರಿಯಾದಾತನ
ಮೇಲೆ ಯುದ್ಧ ಮಾಡುವರು. ಆದರೆ ಆತನು ಕರ್ತರ ಕರ್ತನೂ ರಾಜಾಧಿರಾಜನೂ ಆಗಿರುವದರಿಂದ
ಅವರನ್ನು ಜಯಿಸುವನು. ಮತ್ತು ದೇವರು ಕರೆದವರೂ ದೇವರಾದುಕೊಂಡವರೂ ನಂಬಿಗಸ್ತರೂ
ಆಗಿರುವ ಆತನ ಕಡೆಯವರು ಆ ಜಯದಲ್ಲಿ ಪಾಲುಗಾರರಾಗುವರು.
೧೫ ಇನ್ನೂ ಆ ದೇವದೂತನು ಹೇಳಿದ್ದು- ಆ ಜಾರ ಸ್ತ್ರೀಯು ವಾಸಿಸಿರುವ ನೀರುಗಳನ್ನು
ಕಂಡಿಯಲ್ಲ? ಅವು ಪ್ರಜೆ ಸಮೂಹ ಜನ ಭಾಷೆಗಳನ್ನು ಸೂಚಿಸುತ್ತವೆ. ೧೬ ಇದಲ್ಲದೆ ಹತ್ತು
ಕೊಂಬುಗಳನ್ನೂ ಮೃಗವನ್ನೂ ಕಂಡಿಯಲ್ಲ? ಇವುಗಳನ್ನು ಸೂಚಿತರಾದವರು ಆಜಾರ ಸ್ತ್ರೀಯನ್ನು
ದ್ವೇಷಿಸಿ ಅವಳನ್ನು ಗತಿಗೆಟ್ಟವಳನ್ನಾಗಿಯೂ ಬಟ್ಟೆಯಿಲ್ಲದವಳನ್ನಾಗಿಯೂ ಮಾಡಿ ಅವಳ
ಮಾಂಸವನ್ನು ತಿಂದು ಅವಳನ್ನು ಬೆಂಕಿಯಿಂದ ಸುಟ್ಟುಬಿಡುವರು ೧೭ ಯಾಕಂದರೆ ಅವರು ದೇವರ
ಅಭಿಪ್ರಾಯವನ್ನು ನೆರವೇರಿಸುವದಕ್ಕೂ ಒಂದೇ ಅಭಿಪ್ರಾಯವುಳ್ಳವರಾಗಿದ್ದು ತಮ್ಮ ರಾಜ್ಯವನ್ನು
ಮೃಗಕ್ಕೆ ಕೊಡುವದಕ್ಕೂ ದೇವರು ತನ್ನ ವಚನವು ನೆರವೇರುವ ತನಕ ಅವರ ಹೃದಯಗಳನ್ನು
ಪ್ರೇರಿಸಿದನು. ೧೮ ನೀನು ಕಂಡ ಆ ಸ್ತ್ರೀಯು ಭೂರಾಜರ ಮೇಲೆ ಅಧಿಕಾರ ಹೊಂದಿರುವ
ಮಹಾನಗರಿಯೇ.

ಬಾಬೆಲ ಪಟ್ಟಣದ ನಾಶದಿಂದ ಮನುಷ್ಯರೊಳಗೆ ಉಂಟಾದ ಗೋಳಾಟವನ್ನು ಕುರಿತದ್ದು.

೧೮ ೧ ಇದಾದ ಮೇಲೆ ಮಹಾ ಅಧಿಕಾರವುಳ್ಳ ಮತ್ತೊಬ್ಬ ದೇವದೂತನು ಪರಲೋಕದಿಂದ
ಇಳಿಯುವದನ್ನು ಕಂಡೆನು. ಅವನ ಪ್ರಭಾವದಿಂದ ಭೂಮಿಗೆ ಪ್ರಕಾಶವುಂಟಾಯಿತು.
೨ ಅವನು ಗಟ್ಟಿಯಾದ ಶಬ್ದದಿಂದ ಕೂಗುತ್ತಾ – ಬಿದ್ದಳು ಬಿದ್ದಳು ಬಾಬೆಲಲೆಂಬ ಮಹಾನಗರಿಯು
ಬಿದ್ದಳು ದವ್ವಗಳ ವಾಸಸ್ಥಾನವೂ ಅಶುದ್ಧಾತ್ಮಗಳ ಆಶ್ರಯವೂ ಅಪವಿತ್ರವಾಗಿಯೂ
ಅಸಹ್ಯವಾಗಿಯೂ ಇರುವ ಸಕಲ ವಿಧವಾದ ಪಕ್ಷಿಗಳ ಆಶ್ರಯವೂ ಆದಳು. ೩ ಎಲ್ಲಾ ಜನಾಂಗಗಳು
ಅವಳ ಅತಿಜಾರತ್ವವೆಂಬ ದ್ರಾಕ್ಷಾರಸವನ್ನು ಕುಡಿದರು. ಅವಳೊಂದಿಗೆ ಭೂರಾಜರು
ಜಾರತ್ವ ಮಾಡಿದರು.ಅವಳು ಸುಖಭೋಗಿನಿಯಾಗಿದ್ದದರಿಂದ ಭೂಲೋಕದ ವರ್ತಕರು
ಐಶ್ವರ್ಯವಂತರಾದರು ಎಂದು ಹೇಳಿದನು. ೪ ಪರಲೋಕದಿಂದ ಬಂದ ಮತ್ತೊಂದು ಶಬ್ದವನ್ನು
ಕೇಳಿದೆನು. ಅದು ಹೇಳಿದ್ದೇನಂದರೆ – ನನ್ನ ಪ್ರಜೆಗಳೇ ಅವಳನ್ನು ಬಿಟ್ಟು ಬನ್ನಿರಿ ನೀವು ಅವಳ
ಪಪದಲ್ಲಿ ಪಾಲುಗಾರರಾಗಬಾರದು. ಅವಳಿಗಾಗುವ ಉಪದ್ರವಗಳಿಗೆ ಗುರಿಯಾಗಬಾರದು. ೫ ಅವಳ
ಪಾಪಗಳು ಒಂದರ ಮೇಲೊಂದು ಸೇರಿ ಆಕಾಶದ ಪರ್ಯಂತರಕ್ಕೂ ಬೆಳೆದವೆ. ದೇವರು ಅವಳ
ಅನ್ಯಾಯಗಳನ್ನು ಜ್ಞಾಪಿಸಿಕೊಂಡನು. ೬ ಇತರರಿಗೆ ಅವಳು ಮಾಡಿದ ಪ್ರಕಾರ ಅವಳಿಗೆ ಮಾಡಿರಿ.
ಅವಳ ಕೃತ್ಯಗಳಿಗೆ ಸರಿಯಾಗಿ ಅವಳಿಗೆ ಎರಡರಷ್ಟು ಕೊಡಿರಿ. ಅವಳು ಕಲಸಿದ ಪಾತ್ರೆಯಲ್ಲಿ
ಅವಳಿಗೆ ಎರಡರಷ್ಟು ಕಲಸಿ ಕೊಡಿರಿ. ೭ ಅವಳು ಎಷ್ಟು ಮಟ್ಟಿಗೆ ತನ್ನನ್ನು ಘನಪಡಿಸಿಕೊಂಡು
ಭೋಗಿನಿಯಾಗಿದ್ದಾಳೋಅಷ್ಟು ಮಟ್ಟಿಗೆ ಅವಳಿಗೆ ಯಾತನೆಯನ್ನೂ ದುಃಖವನ್ನೂ ಕೊಡಿರಿ.
ಅವಳು ತನ್ನ ಹೃದಯದಲ್ಲಿ ನಾನು ರಾಣಿಯಾಗಿ ಕೂತುಕೊಂಡಿದ್ದೇನೆ ನಾನು ವಿಧವೆಯಲ್ಲ
ದುಃಖವನ್ನು ಕಾಣುವದೇ ಇಲ್ಲ ಎಂದು ಹೇಳಿಕೊಳ್ಳುವದರಿಂದ, ೮ ಅವಳಿಗೆ ಕೊಲೆ ದುಃಖ
ಕ್ಷಾಮ ಎಂಬೀ ಉಪದ್ರವಗಳು ಒಂದೇ ದಿನದಲ್ಲಿ ಸಂಭವಿಸುವವು. ಅವಳು ಬೆಂಕಿಯಿಂದ
ಸುಟ್ಟು ಹೋಗುವಳು. ಅವಳಿಗೆ ದಂಡನೆಯನ್ನು ವಧಿಸಿದ ದೇವರಾಗಿರುವ ಕರ್ತನು
ಬಲಿಷ್ಠನಾಗಿದ್ದಾನೆ. ೯ ಅವಳೊಂದಿಗೆ ಜಾರತ್ವ ಮಾಡಿ ಭೋಗಿಗಳಾಗಿ ಬದುಕಿದ ಭೂರಾಜರು
ಅವಳ ದಹನದಿಂದೇರುವ ಹೊಗೆಯನ್ನು ನೋಡುವಾಗ ಅವಳ ಯಾತನೆಯ ದೆಸೆಯಿಂದ
ಭಯಪಟ್ಟು ದೂರದಲ್ಲಿ ನಿಂತು ಗೋಳಾಡುತ್ತಾ ಎದೆಬಡಕೊಳ್ಳುತ್ತಾ, ೧೦ ಅಯ್ಯೋ ಅಯ್ಯೋ
ಮಹಾ ಪಟ್ಟಣವೇ ಬಾಬೆಲೇ ಬಲಿಷ್ಟವಾದ ನಗರಿಯೇ ನಿನಗೆ ವಿಧಿಸಲ್ಪಟ್ಟ ದಂಡನೆಯು
ಒಂದೇ ಗಳಿಗೆಯಲ್ಲಿ ಬಂತಲ್ಲಾ ಎಂದು ಹೇಳುವರು. ೧೧ ಇದಲ್ಲದೆ ಭೂಲೋಕದ ವರ್ತಕರು ಅವಳ
ನಿಮಿತ್ತವಾಗಿ ಅತ್ತು ಗೋಳಾಡುತ್ತಾ ನಮ್ಮ ಹಡಗುಗಳ ಸರಕುಗಳನ್ನು ಕೊಂಡುಕೊಳ್ಳುವವರು ಇನ್ನು
ಇಲ್ಲವಲ್ಲಾ ೧೨ ಚಿನ್ನ ಬೆಳ್ಳಿ ರತ್ನ ಮುತ್ತು ನಯವಾದ ನಾರುಮಡಿ ಧೂಮ್ರವರ್ಣದ ವಸ್ತ್ರ ರೇಶಿಮೆ
ರಕ್ತಾಂಬರ ಸಕಲ ವಧವಾದ ಅಗಿಲುಮರ ಸಕಲ ವಿಧವಾದ ಜಂತದ ಸಾಮಾನು ಬಹು ಬೆಲೆಯುಳ್ಳ
ಮರ ತಾಮ್ರ ಕಬ್ಬಿಣ ಚಂದ್ರಕಾಂತ ಶಿಲೆ ಇವುಗಳಿಂದ ಮಾಡಿದ ಸಕಲ ವಿಧವಾದ ಪಾತ್ರೆ ಲವಂಗ
ಚಕ್ಕೆ ರಕ್ತಬಾಳ ಧೂಮ. ೧೩ ಸುಗಂಧ ತೈಲ ಸಾಮ್ರಾಣಿ ದ್ರಾಕ್ಷಾರಸ ಎಣ್ಣೆ ನಯವಾದ ಹಿಟ್ಟು ಗೋಧಿ

ದನ ಕುರಿ ಕುದುರೆ ರಥ ಗುಲಾಮ ಮಾನುಷಪ್ರಾಣಿ ಇವೇ ಮೊದಲಾದ ನಮ್ಮ ಸರಕುಗಳನ್ನು
ಕೊಂಡುಕೊಳ್ಳುವವರು ಯಾರೂ ಇಲ್ಲವಲ್ಲಾ ಎಂದು ಹೇಳಿಕೊಳ್ಳುತ್ತಾ ದುಃಖಿಸುವರು. ೧೪ ಬಾಬೆಲೇ
ನಿನ್ನ ಜೀವವು ಅಪೇಕ್ಷಿಸಿದ ಹಣ್ಣುಹಂಪಲಗಳು ನಿನ್ನನ್ನು ಬಿಟ್ಟು ಹೋದವು. ಸೊಗಸಾಗಿಯೂ
ಶೋಭಾಯಮಾನವಾಗಿಯೂ ಇರುವದೆಲ್ಲವೂ ನಾಶವಾಗಿ ನಿನ್ನನ್ನು ಬಿಟ್ಟುಬಿಟ್ಟವು ಅವು ಇನ್ನು
ಮೇಲೆ ಜನರಿಗೆ ಸಿಕ್ಕುವದೇ ಇಲ್ಲ. ೧೫ ಆ ಸರಕುಗಳನ್ನು ಮಾರಿ ಅವಳಿಂದ ಐಶ್ವರ್ಯವಂತರಾದ
ವರ್ತಕರು ಅವಳ ಯಾತನೆಯನ್ನು ನೋಡಿ ಭಯಪಟ್ಟು ದೂರದಲ್ಲಿ ನಿಂತು ಗೋಳಾಡುತ್ತಾ
ದುಃಖಿಸುತ್ತಾ ೧೬ ಅಯ್ಯೋ ಅಯ್ಯೋ ನಯವಾದ ನಾರುಮಡಿಯನ್ನೂ ಧೂಮ್ರವರ್ಣದ
ವಸ್ತ್ರಗಳನ್ನೂ ರಕ್ತಾಂಬರವನ್ನೂ ಧರಿಸಿಕೊಂಡು ಚಿನ್ನ ರತ್ನ ಮುತ್ತು ಇವುಗಳಿಂದ ತನ್ನನ್ನು
ಅಲಂಕರಿಸಿಕೊಂಡಿದ್ದ ಈ ಮಹಾ ಪಟ್ಟಣಕ್ಕೆ ಏನು ದುರ್ಗತಿ ಸಂಭವಿಸಿತು. ೧೭ ಅಷ್ಟುಐಶ್ವರ್ಯವು
ಒಂದೇ ಗಳಿಗೆಯಲ್ಲಿ ವಾಶವಾಯಿತಲ್ಲಾ ಎಂದು ಹಂಬಲಿಸುವರು. ಇದಲ್ಲದೆ ಹಡಗುಗಳ
ಯಜಮಾವರೂ ಸಮುದ್ರ ಪ್ರಯಾಣ ಮಾಡುವವರೂ ನಾವಿಕರೂ ಸಮುದ್ರದ ಮೇಲೆ ಕೆಲಸವನ್ನು
ನಡಿಸಿ ಜೀವನಮಾಡುವವರೆಲ್ಲರೂ ದೂರದಲ್ಲಿ ನಿಂತು, ೧೮ ಅವಳ ದಹನದಿಂದೇರುವ
ಹೊಗೆಯನ್ನು ನೋಡುತ್ತಾ ಈ ಮಹಾ ಪಟ್ಟಣಕ್ಕೆ ಸಮಾನವಾದದ್ದು ಯಾವದು ಎಂದು ಕೂಗಿ
ಹೇಳಿದರು. ೧೯ ಆಗ ಅವರು ತಮ್ಮ ತಲೆಗಳ ಮೇಲೆ ಮಣ್ಣನ್ನು ಹೊಯಿದುಕೊಂಡು ಅಳುತ್ತಾ
ಗೋಳಾಡುತ್ತಾ – ಅಯ್ಯೋ ಅಯ್ಯೋ ಸಮುದ್ರದ ಮೇಲೆ ಹಡಗುಳ್ಳವರೆಲ್ಲರನ್ನು ತನ್ನ ಅಮೂಲ್ಯ
ದ್ರವ್ಯಗಳಿಂದ ಐಶ್ವರ್ಯವಂತರನ್ನಾಗಿ ಮಾಡಿದ ಈ ಮಹಾ ಪಟ್ಟಣಕ್ಕೆ ಎಂಥಾ ಗತಿ ಬಂತು.ಇವಳು
ಒಂದೇ ಗಳಿಗೆಯಲ್ಲಿ ಹಾಳಾದಳಲ್ಲಾ ಎಂದು ಕೂಗಿ ಹೇಳಿದರು. ೨೦ ಪರಲೋಕಬೇ ಆನಂದಪಡು.
ದೇವಜನರೇ ಅಪೊಸ್ತಲರೇ ಪ್ರವಾದಿಗಳೇ ಇವಳು ನಿಮಗೆ ಅನ್ಯಾಯ ಮಾಡಿದ್ದಕ್ಕಾಗಿ ದೇವರು
ಇವಳಿಗೆ ಪ್ರತಿದಂಡನೆಯನ್ನು ಮಾಡಿದ್ದರಿಂದ ಆನಂದಪಡಿರಿ.ಎಂದು ಆ ಶಬ್ದ ಹೇಳಿತು.
೨೧ ಆಗ ಬಲಿಷ್ಟನಾದ ಒಬ್ಬ ದೇವದೂತನು ದೊಡ್ಡ ಬೀಸುವ ಕಲ್ಲಿನಂತಿರುವ ಒಂದು
ಕಲ್ಲನ್ನು ಎತ್ತಿ ಸಮುದ್ರದೊಳಗೆ ಹಾಕಿ ಮಹಾ ಪಟ್ಟಣವಾದ ಬಾಬೆಲ ಹೀಗೆಯೇ ದಡದಡನೆ
ಕೆಡವಲ್ಪಟ್ಟು ಇನ್ನೆಂದಿಗೂ ಕಾಣಿಸುವದಿಲ್ಲ. ೨೨ ಬಾಬೆಲ ನಿನ್ನಲ್ಲಿ ವೀಣೆಗಾರರೂ ವಾದ್ಯಗಾರರೂ
ಕೊಳಲೂದುವವರೂ ತುತೂರಿಯವರೂ ಮಾಡುವ ಧ್ವನಿಯು ಇನ್ನೆಂದಿಗೂ ಕೇಳಿಸುವದಿಲ್ಲ.
ಯಾನ ವಿಧವಾದ ಕೈಗಾರಿಕೆಯನ್ನು ಮಾಡುವವರು ನಿನ್ನಲ್ಲಿ ಇನ್ನೆಂದಿಗೂ ಸಿಕ್ಕುವದಿಲ್ಲ. ಬೀಸುವ
ಕಲ್ಲಿನ ಶಬ್ದವು ನಿನ್ನಲ್ಲಿ ಇನ್ನೆಂದಿಗೂ ಕೇಳಿಸುವದಿಲ್ಲ. ೨೩ ದೀಪದ ಬೆಳಕು ನಿನ್ನಲ್ಲಿ ಇನ್ನೆಂದಿಗೂ
ಕಾಣಿಸುವದಿಲ್ಲ.ವಧೂವರರ ಸ್ವರವು ನಿನ್ನಲ್ಲಿ ಎಂದಿಗೂ ಕೇಳಿಸುವದಿಲ್ಲ. ನಿನ್ನ ವರ್ತಕರು
ಭೂಮಿಯ ಪ್ರಭುಗಳಾಗಿದ್ದರಲ್ಲವೇ.ನಿನ್ನ ಮಾಟದಿಂದ ಎಲ್ಲಾ ಜನಾಂಗದವರು ಮರುಳಾದರು.
೨೪ ಪ್ರವಾದಿಗಳ ರಕ್ತವೂ ದೇವಜನರ ರಕ್ತವೂ ಭೂಮಿಯ ಮೇಲೆ ಕೊಲ್ಲಲ್ಪಟ್ಟವರೆಲ್ಲರ ರಕ್ತವೂ
ನಿನ್ನಲ್ಲಿ ಸಿಕ್ಕಿತು ಎಂದು ಹೇಳಿದನು.

ಬಾಬೆಲ ಪಟ್ಟಣವು ಬಿದ್ದದ್ದಕ್ಕೆ ಪರಲೋಕದಲ್ಲಿ ಉಂಟಾದ ಹರ್ಷವನ್ನು ಕುರಿತದ್ದು.

೧೯ ೧ ಇದಾದ ಮೇಲೆ ಪರಲೋಕದಲ್ಲಿ ದೊಡ್ಡ ಗುಂಪಿನ ಮಹಾ ಶಬ್ದವೋ ಎಂಬಂತೆ
ಒಂದು ಶಬ್ದವನ್ನು ಕೇಳಿದೆನು. ಅವರು ಹಲ್ಲೆಲ್ಲೂಯಾ ಜಯವೂ ಪ್ರಭಾವವೂ ಶಕ್ತಿಯೂ
ನಮ್ಮ ದೇವರಲ್ಲಿ ಉಂಟು. ೨ ಆತನ ನ್ಯಾಯತೀರ್ಪುಗಳು ಸತ್ಯವೂ ನ್ಯಾಯವೂ ಆಗಿವೆ. ತನ್ನ
ಜಾರತ್ವದಿಂದ ಭೂಲೋಕವನ್ನು ಕೆಡಿಸುತ್ತಿದ್ದ ಆ ಮಹಾ ಜಾರಸ್ತ್ರೀಗೆ ಆತನು ನ್ಯಾಯತೀರಿಸಿ ಅವಳು
ಆತನ ಸೇವಕರನ್ನು ಕೊಂದದ್ದಕ್ಕಾಗಿ ಅವಳಿಗೆ ಪ್ರತಿದಂಡನೆಯನ್ನು ಮಾಡಿದ್ದಾನೆ. ಎಂದು ಹೇಳಿ
ಎರಡನೆಯ ಸಾರಿ, ೩ ಹಲ್ಲೆಲ್ಲೂಯಾ ಎಂದು ಆರ್ಭಟಿಸಿ- ಅವಳ ದಹನದಿಂದುಟಾದ ಹೊಗೆಯು
ಯುಗಯುಗಾಂತರಗಳಲ್ಲಿಯೂ ಏರಿಹೋಗುತ್ತ]ಎ. ಎಂದು ಹೇಳಿದನು. ೪ ಆಗ ಇಪ್ಪತ್ತು ನಾಲ್ಕು
ಮಂದಿ ಹಿರಿಯರೂ ಆ ನಾಲ್ಕು ಜೀವಿಗಳೂ ಅಡ್ಡಬಿದ್ದು ಸಿಂಹಾಸವದ ಮೇಲೆ ಕೂತಿರುವ
ದೇವರಿಗೆ ನಮಸ್ಕಾರ ಮಾಡಿ ಆಮೆನ್ ಹಲ್ಲೆಲ್ಲೂಯಾ , ಅಂದರು.

ಸಭೆಯೆಂಬ ಕನ್ನಿಯನ್ನೂ ರಾಜಾಧಿರಾಜಣ್ಣೂ ಕುರಿತದ್ದು.

೫ ಆ ಮೇಲೆ ಸಿಂಹಾಸನದ ಕಡೆಯಿಂದ ಬಂದ ಒಂದು ಶಬ್ದವು – ದೇವರ ದಾಸರೆಲ್ಲರೇ
ದೇವರಿಗೆ ಭಯಪಡುವ ಹಿರಿಯರೇ, ನಮ್ಮ ದೇವರನ್ನು ಕೊಂಡಾಡಿರಿ. ಎಂದು ಹೇಳಿತು.
೬ ತರುವಾಯ ಜನರ ದೊಡ್ಡ ಗುಂಪಿನ ಶಬ್ದದಂತೆಯೂ ಜಲಪ್ರವಾಹಘೋಷದಂತೆಯೂ
ಗಟ್ಟಿಯಾದ ಗುಡುಗಿನ ಶಬ್ದದಂತೆಯೂ ಇದ್ದ ಒಂದು ಶಬ್ದವನ್ನು ಕೇಳಿದೆನು. ಅದು ಹಲ್ಲೆಲ್ಲೂಯಾ

ಸರ್ವಶಕ್ತವಾಗಿರುವ ನಮ್ಮ ದೇವರಾದ ಕರ್ತನು ಆಳುತ್ತಾನೆ. ೭ ಯಜ್ಞದ ಕುರಿಯಾದಾತನ
ವಿವಾಹಕಾಲವು ಬಂತು. ಆತನಿಗೆ ವಿವಾಹವಾಗುವ ಕನ್ಯೆ ತನ್ನನ್ನು ಸಿದ್ಧಮಾಡಿಕೊಂಡಿದ್ದಾಳೆ
ಸಂತೋಷಪಡೋಣ ಹರ್ಷಗೊಳ್ಳೋಣ. ಆತನನ್ನು ಘನಪಡಿಸೋಣ ಎಂದು ಹೇಳಿತು.
೮ ಪ್ರಕಾಶಮಾನವೂ ನಿರ್ಮಲವೂ ಆದ ನಯವಾದ ನಾರುಮಡಿಯನ್ನು ಧರಿಸಿಕೊಳ್ಳುವದಕ್ಕೆ
ಆಕೆಗೆ ಅನುಗ್ರಹಿಸೋಣವಾಗಿತ್ತು. ಆ ನಾರುಮಡಿ ಅಂದರೆ ದೇವಜನರ ಸತ್ಕಾರ್ಯಗಳೇ.
೯ ಇದಲ್ಲದೆ ಅವನು ನನ್ನ ಸಮಗಡ ಮಾತಾಡುತ್ತಾ ಯಜ್ಞದ ಕುರಿಯಾದಾತನ ವಿವಾಹದ ಔತಣಕ್ಕೆ
ಕರಿಸಿಕೊಂಡವರು ಧನ್ಯರು. ಎಂಬದಾಗಿ ಬರೆ. ಎಂದು ನನಗೆ ಹೇಳಿ ಈ ಮಾತುಗಳು ದೇವರ
ಸತ್ಯ ವಚನಗಳಾಗಿವೆ ಅಂದನು. ೧೦ ಆಗ ನಾನು ಅವನಿಗೆ ನಮಸಕಾರ ಮಾಡಬೇಕೆಂದು ಅವನ
ಪಾದಗಳ ಮುಂದೆ ಬೀಳಲು ಅವನು – ಮಾಡಬೇಡ ನೋಡು ನಾಣು ನಿನಗೂ ಯೇಸುವಿನ
ಸಾಕ್ಷಿಯನ್ನು ಹೇಳಿರುವ ನಿನ್ನ ಸಹೋದರರಿಗೂ ಜೊತೆಯ ದಾಸನಾಗಿದ್ದೇನೆ. ದೇವರಿಗೇ
ನಮಸ್ಕಾರ ಮಾಡು ಅಂದನು. ಯೇಸುವಿನ ವಿಷಯವಾದ ಸಾಕ್ಷಿಯು ಪ್ರವಾದನೆಯ ವಾಕ್ಯವೇ.
೧೧ ಪರಲೋಕವು ತೆರೆದಿರುವದನ್ನು ನಾನು ಕಂಡೆನು. ಆಗ ಇಗೋ ಬಿಳೀ ಕುದುರೆಯು ನನಗೆ
ಕಾಣಿಸಿತು. ಅದರ ಮೇಲೆ ಕೂತಿದ್ದವನಿಗೆ ನಂಬಿಗಸ್ತನೂ ಸತ್ಯವಂತನೂ ಎಂದು ಹೆಸರು. ಆತನು
ನೀತಿಯಿಂದ ನ್ಯಾಯ ವಿಚಾರಿಸುತ್ತಾನೆ. ನೀತಿಯಿಂದ ಯುದ್ಧಮಾಡುತ್ತಾನೆ. ೧೨ ಆತನ ಕಣ್ಣುಗಳು
ಬೆಂಕಿಯ ಉರಿಯಂತಿವೆ. ಆತನ ತಲೆಯ ಮೇಲೆ ಅನೇಕ ಮುಕುಟಗಳುಂಟು. ಆತನಿಗೆ ಒಂದು
ಹೆಸರು ಬರೆದು ಕೊಟ್ಟಿದೆ. ಅದು ಅತನಿಗೇ ಹೊರತು ಮತ್ತಾರಿಗೂ ತಿಳಿಯದು. ೧೩ ಆತನು
ರಕ್ತಪ್ರೋಕ್ಷಿತವಾದ ವಸ್ತ್ರವನ್ನು ಧರಿಸಿಕೊಂಡಿದ್ದನು. ಆತನಿಗೆ ದೇವರ ವಾಕ್ಯವೆಂದು ಹೆಸರು.
೧೪ ಪರಲೋಕದಲ್ಲಿರುವ ಸೈನ್ಯದವರು ಶುಭ್ರವಾಗಿಯೂ ನಿರ್ಮಲವಾಗಿಯೂ ಇರುವ ನಯವಾದ
ನಾರುಮಡಿಯನ್ನು ಧರಿಸಿಕೊಂಡು ಬಿಳೀ ಕುದುರೆಗಳ ಮೇಲೆ ಹತ್ತಿದವರಾಗಿ ಆತನ ಹಿಂದೆ
ಬರುತ್ತಿದ್ದರು. ೧೫ ಜನಾಂಗಗಳನ್ನು ಹೊಡೆಯುವದಕ್ಕಾಗಿ ಹದವಾದ ಕತ್ತಿಯು ಆತನ ಬಾಯಿಂದ
ಬರುತ್ತದೆ. ಆತನು ಅವರನ್ನು ಕಬ್ಬಿಣದ ಕೋಲಿನಿಂದ ಆಳುವನು. ಆತನೀಉ ಸರ್ವಶಕ್ತವಾದ ದೇವರ
ಉಗ್ರಕೋಪವೆಂಬ ದ್ರಾಕ್ಷೇಯ ತೊಟ್ಟಿಯಲ್ಲಿರುವದನ್ನು ತುಳಿಯುತ್ತಾನೆ. ೧೬ ಆತನ ತೊಡೆಯ
ಮೇಲಣ ವಸ್ತ್ರದಲ್ಲಿ – ರಾಜಾಧಿ ರಾಜನೂ ಕರ್ತರ ಕರ್ತನೂ ಎಂಬ ಹೆಸರು ಬರೆದಿದೆ.

## ಮೊದಲನೆಯ ಮೃಗವು ಸುಳ್ಳು ಪ್ರವಾದಿಯು ನಾಶವಾದದ್ದಿ.

೧೭ ಆ ಮೇಲೆ ಒಬ್ಬ ದೇವದೂತನು ಸೂರ್ಯನಲ್ಲಿ ನಿಂತಿರುವದನ್ನು ಕಂಡೆನು. ಅವನು ಮಹಾ
ಶಬ್ದದಿಂದ ಕೂಗುತ್ತಾ ಆಕಾಶದಲ್ಲಿ ಹಾರಾಡುವ ಎಲ್ಲಾ ಪಕ್ಷಿಗಳಿಗೆ – ಬನ್ನಿರಿ .ದೇವರು ಮಾಡಿಸುವ
ಮಹಾ ಭೋಜಕ್ಕೆ ಕೂಡಿಬನ್ನಿರಿ. ೧೮ ರಾಜರ ಮಾಂಸವನ್ನೂ ಸಹಸ್ರಾಧಿಪತಿಗಳ ಮಾಂಸವನ್ನೂ
ಕುದುರೆಗಳ ಮಾಂಸವನ್ನೂ ರಾಹುತರ ಮಾಂಸವನ್ನೂ ಸ್ವತಂತ್ರರೂ ದಾಸರೂ ದೊಡ್ಡವರೂ ಚಿಕ್ಕವರೂ
ಇವರೆಲ್ಲರ ಮಾಸವನ್ನೂ ತಿನ್ನುವದಕ್ಕೆ ಬನ್ನಿರಿ ಎಂದು ಹೇಳಿದನು.
೧೯ ತರುವಾಯ ಆ ಮೊದಲನೆಯ ಮೃಗವು ಭೂರಾಜರೂ ಅವರ ಸೈನ್ಯಗಳವರೂ ಆ ಕುದುರೆಯ
ಮೇಲೆ ಕೂತಿದ್ದವನ ಮೇಲೆಯೂ ಆತನ ಸೈನ್ಯದ ಮೇಲೆಯೂ ಯುದ್ಧಮಾಡುವದಕ್ಕಾಗಿ
ಕೂಡಿ ಬರುವದನ್ನು ಕಂಡೆನು. ಆಗ ಆ ಮೃಗವು ಸೆರೆ ಸಿಕ್ಕಿತು. ೨೦ ಇದಲ್ಲದೆ ಮೃಗದ ಮುಂದೆ
ಮಹತ್ಕಾರ್ಯಗಳನ್ನು ಮಾಡಿ ಮೃಗದ ಗುರುತು ಹಾಕಿಸಿಕೊಂಡವರನ್ನು ಅದರ ವಿಗ್ರಹಕ್ಕೆ
ನಮಸ್ಕರಿಸಿದವರನ್ನೂ ಮರುಳುಗೊಳಿಸಿದ ಆ ಸುಳ್ಳುಪ್ರವಾಧಿಯೂ ಅದರ ಜೊತೆಯಲ್ಲಿ
ಸೆರೆಸಿಕ್ಕಿದನು. ಇವರಿಬ್ಬರೂ ಜೀವಸಹೀತವಾಗಿ ಗಂಧಕದಿಂದ ಉರಿಯುವ ಬೆಂಕಿಯ
ಕೆರೆಯಲ್ಲಿ ಹಾಕಲ್ಪಟ್ಟರು. ೨೧ ಮಿಕ್ಕಾದವರು ಆ ಕುದುರೆಯ ಮೇಲೆ ಕೂತಿದ್ದವನ ಬಾಯಿಂದ
ಬಂದ ಕತ್ತಿಯಿಂದ ಹತರಾದರು. ಮತ್ತು ಹಕ್ಕಿಗಳೆಲ್ಲಾ ಅವರ ಮಾಂಸವನ್ನು ಹೊಟ್ಟೆತುಂಬಾ ತಿಂದವು.

## ಸೈತಾನನು ನಾಶವಾದದ್ದು.

೨೦ ೧ ಆಗ ಒಬ್ಬ ದೇವದೂತನು ಅಧೋಲೋಕದ ಬೀಗದ ಕೈಯನ್ನೂ ದೊಡ್ಡ ಸರಪಣಿಯನ್ನೂ
ಕೈಯಲ್ಲಿ ಹಿಡಿದುಕೊಂಡು ಪರಲೋಕದಿಂದ ಇಳಿದು ಬರುವದನ್ನು ಕಂಡೆನು. ೨ ಅವನು
ಪಿಶಾಚನೂ ಸೈತಾನನೂ ಆಗಿರುವ ಪುರಾತನ ಸರ್ಪನೆಂಬ ಘಟಸರ್ಪನನ್ನು ಹಿಡಿದು ಸಾವಿರ
ವರುಷ ಬಂಧನದಲ್ಲಿಟ್ಟಿದ್ದನು. ೩ ಆ ಸಾವಿರ ವರುಷ ತೀರುವ ತನಕ ಸೈತಾನನು ಇನ್ನೂ ಜನಗಳನ್ನು
ಮರಳುಗೊಳಿಸದ ಹಾಗೆ ದೇವದೂತನು ಅವನನ್ನು ಅಧೋಲೋಕದಲ್ಲಿ ದೊಬ್ಬಿ ಬಾಗಿಲು

ಮುಚ್ಚಿ ಅದಕ್ಕೆ ಮುದ್ರೆ ಹಾಕಿದನು. ಆ ಸಾವಿರ ವರುಷಗಳಾದ ಮೇಲೆ ಅವನಿಗೆ ಸ್ವಲ್ಪ ಕಾಲ
ಬಿಡುಗಡೆಯಾಗಬೇಕು.
೪ ತರುವಾಯ ಸಿಂಹಾಸನಗಳನ್ನು ಕಂಡೆನು. ಅವುಗಳ ಮೇಲೆ ಜನರು ಕೂತಿದ್ದರು. ನ್ಯಾಯ
ತೀರಿಸುವ ಅಧಿಕಾರವು ಅವನಿಗೆ ಕೊಡಲ್ಪಟ್ಟಿತು. ಇದಲ್ಲದೆ ಯೇಸುವಿನ ವಿಷಯವಾದ
ಸಾಕ್ಷಿಯ ನಿಮಿತ್ತವಾಗಿಯೂ ದೇವರ ವಾಕ್ಯದ ನಿಮಿತ್ತವಾಗಿಯೂ ತಲೆಹೊಯಿಸಿಕೊಂಡವರ
ಆತ್ಮಗಳನ್ನೂ ಮೃಗಕ್ಕೂ ಅದರ ವಿಗ್ರಹಕ್ಕೂ ನಮಸಕರಿಸದೇ ತನ್ನ ಹಣೆಯ ಮೇಲೆ ಮತ್ತು
ಕೈಮೇಲೆ ಗುರುತುಹಾಕಿಸಿಕೊಳ್ಳದೆ ಇರುವವರನ್ನೂ ಕಂಡೆನು. ಅವರು ಜೀವಿತರಾಗಿ ಎದ್ದು
ಸಾವಿರ ವರುಷಕ್ರಿಸ್ತವಿನೊಂದಿಗೆ ಆಳಿದರು. ೫ ಮಿಕ್ಕ ಸತ್ತವರು ಆ ಸಾವಿರ ವರುಷ ತೀರುವ
ತನಕ ಜೀವಿತರಾಗಿ ಏಳಲಿಲ್ಲ. ಇದೇ ಪ್ರಥಮ ಪುನರುತ್ಥಾನವು. ೬ ಪ್ರಥಮ ಪುನರುತ್ಥಾನದಲ್ಲಿ
ಸೇರಿರುವವನು ಧನ್ಯನೂ ಪರಿಶುದ್ದನೂ ಆಗಿದ್ದಾನೆ. ಇಂಥವರ ಮೇಲೆ ಎರಡನೆಯ ಮರಣಕ್ಕೆ
ಅಧಿಕಾವಿಲ್ಲ. ಆದರೆ ಅವರು ದೇವರಿಗೂ ಕ್ರಿಸ್ತನಿಗೂ ಯಾಜಕರಾಗಿ ಕ್ರಿಸ್ತವಿನೊಂದಿಗೆ ಆ ಸಾವಿರ
ವರುಷ ಆಳುವರು. ೭ ಆ ಸಾವಿರ ವರುಷಗಳು ತೀರಿದ ಮೇಲೆ ಸೈತಾನನಿಗೆ ಸೆರೆಯಿಂದ
ಬಿಡುಗಡೆಯಾಗುವದು. ೮ ಅವನು ಹೊರಗೆ ಬಂದು ಭೂಮಿಯ ನಾಲ್ಕು ದಿಕ್ಕುಗಳಲ್ಲಿರುವ ಗೋಗ
ಮಾಗೋಗ ಎಂಬ ಜನಾಂಗಗಳನ್ನು ಮರುಳುಗೊಳಿಸಿ ಅವರನ್ನು ಯುದ್ಧಕ್ಕೆ ಕೂಡಿಸುವನು. ಅವರ
ಸಂಖ್ಯೆಯು ಸಮುದ್ರದ ಮರಳಿನಷ್ಟಿರುವದು. ೯ ಅವರು ದೇಶದಲ್ಲೆಲ್ಲಾ ಹರಡಿಕೊಂಡು ದೇವಜನರ
ದಂಡಿಗೂ ನಮ್ಮ ಪ್ರಿಯ ಪಟ್ಟಣಕ್ಕೂ ಮುತ್ತಿಗೆ ಹಾಕಿದರು. ಆಗ ಪರಲೋಕದಿಂದ ಬೆಂಕಿ ಇಳಿದು
ಬಂದು ಅವರನ್ನು ದಹಿಸಿಬಿಟ್ಟಿತು. ೧೦ ಇದಲ್ಲದೆ ಅವರನ್ನು ಮರುಳುಗೊಳಿಸಿದ ಸೈತಾನನು ಬೆಂಕಿ
ಗಂಧಕಗಳುರಿಯುವ ಕೆರೆಯಲ್ಲಿ ದೊಬ್ಬಲ್ಪಟ್ಟನು. ಅಲ್ಲಿ ಮೃಗವೂ ಸುಳ್ಳುಪ್ರವಾದಿಯೂ ಕೂಡ
ಇದ್ದಾರೆ ಅವರು ಹಗಲಿರುಳು ಯುಗಯುಗಾಂತರಗಳಲ್ಲಿಯೂ ಯತನೆಪಡುತ್ತಿರುವರು.

### ಸತ್ತವರ ಪುನರುತ್ಥಾವವನ್ನೂ ಕಡೇ ನ್ಯಾಯತೀರ್ಪನ್ನೂ ಕುರಿತದ್ದು. ಮೃತ್ಯುವೂ ಪಾತಾಳವೂ ನಾಶವಾದದ್ದು.

೧೧ ಆ ಮೇಲೆ ಬೆಳ್ಳಗಿರುವ ಮಹಾ ಸಿಂಹಾಸನವನ್ನೂ ಅದರ ಮೇಲೆ ಕೂತಿದ್ದಾತನನ್ನೂ
ಕಂಡೆನು.ಆತನೆದುರಿನಿಂದ ಭೂಮ್ಯಾಕಾಶಗಳು ಓಡಿಹೋಗಿ ಇನ್ನು ಕಾಣಿಸದ ಹಾಗಾದವು.
೧೨ ಇದಲ್ಲದೆ ಸತ್ತವರಾದ ದೊಡ್ಡವರೂ ಚಿಕ್ಕವರೂ ಸಿಂಹಾಸನದ ಮುಂದೆ ನಿಂತಿರುವದನ್ನು
ಕಂಡೆನು.ಆಗ ಪುಸ್ತಕಗಳು ತೆರೆಯಲ್ಪಟ್ಟವು. ಮತ್ತು ಜೀವಬಾಧ್ಯರ ಪಟ್ಟಿ ಎಂಬ ಇನ್ನೊಂದು ಪುಸ್ತಕವು
ತೆರೆಯಲ್ಪಟ್ಟಿತು. ಆಪುಸ್ತಕಗಳಲ್ಲಿ ಬರೆದಿದ್ದ ಸಂಗತಿಗಳ ಆದಾರದಿಂದ ಅವರವರ ಕೃತ್ಯಗಳ
ಪ್ರಕಾರ ಸತ್ತವರಿಗೆ ನ್ಯಾಯತೀರ್ಪಾಯಿತು. ೧೩ ಸಮುದ್ರವು ತನ್ನೊಳಗಿದ್ದ ಸತ್ತವರನ್ನು ಒಪ್ಪಿಸಿತು.
ಮೃತ್ಯುವೂ ಪಾತಾಳವೂ ತಮ್ಮ ವಶದಲ್ಲಿದ್ದ ಸತ್ತವರನ್ನು ಒಪ್ಪಿಸಿದವು. ಅವರಲ್ಲಿ ಪ್ರತಿಯೊಬ್ಬನಿಗೆ
ಅವನವನ ಕೃತ್ಯಗಳ ಪ್ರಕಾರ ನ್ಯಾಯತೀರ್ಪಾಯಿತು. ೧೪ ಆ ಮೇಲೆ ಮೃತ್ಯುವೂ ಪಾತಾಳವೂ
ಬೆಂಕಿಯ ಕೆರೆಗೆ ದೊಬ್ಬಲ್ಪಟ್ಟವು. ಆ ಬೆಂಕಿಯ ಕೆರೆಯೇ ಎರಡನೆಯ ಮರಣವು. ೧೫ ಯವನ
ಹೆಸರು ಜೀವಬಾಧ್ಯರ ಪಟ್ಟಿಯಲ್ಲಿ ಬರೆದದ್ದಾಗಿ ಕಾಣಲಿಲ್ಲವೋ ಅವನು ಬೆಂಕಿಯ ಕೆರೆಗೆ
ದೊಬ್ಬಲ್ಪಟ್ಟನು.

### ನೂತನ ಭೂಮ್ಯಾಕಾಶಗಳನ್ನು ಕುರಿತದ್ದು.

೨೧ ೧ ತರುವಾಯ ನೂತನಾಕಾಶಮಂಡಲವನ್ನೂ ನೂತನಭೂಮಂಡಲವನ್ನೂ ಕಂಡೆನು.
ಮೊದಲಿದ್ದ ಆಕಾಶಮಂಡಲವು ಮೊದಲಿದ್ದ ಭೂಮಂಡಲವೂ ಇಲ್ಲದೆ ಹೋದವು. ಇನ್ನು
ಸಮುದ್ರವು ಇಲ್ಲ. ೨ ಇದಲ್ಲದೆ ಪರಿಶುದ್ದ ಪಟ್ಟಣವಾದ ಹೊಸ ಯೇರುಸಲೇಮು ಪರಲೋಕದಿಂದ
ದೇವರ ಬಳಿಯಿಂದ ಇಳಿದು ಬರುವದನ್ನು ಕಂಡೆನು. ಅದು ತನ್ನ ಗಂಡನಿಗೋಸ್ಕರ ಅಲಂಕೃತಳಾದ
ಮದಲಗಿತ್ತಿಯಂತೆ ಶೃಂಗರಿಸಲ್ಪಟ್ಟಿತ್ತು. ೩ ಇದಲ್ಲದೆ ಸಿಂಹಾಸನದೊಳಗಿಂದ ಬಂದ ಮಹಾ
ಶಬ್ದವು ನನಗೆ ಕೇಳಿಸಿತು. ಅದು- ಇಗೋ ದೇವರ ನಿವಾಸವು ಮನುಷ್ಯರಲ್ಲಿ ಅದೆ. ಆತನು
ಅವರೊಡನೆ ವಾಸಮಾಡುವನು. ಅವರು ಆತನಿಗೆ ಪ್ರಜೆಗಳಾಗಿರುವರು. ದೇವರು ತಾನೇ ಅವರ
ಸಂಗಡ ಇರುವನು. ೪ ಅವರ ಕಣ್ಣೀರನ್ನೆಲ್ಲಾ ಒರಸಿಬಿಡುವನು. ಇನ್ನು ಮರಣವಿರುವದಿಲ್ಲ .
ಇನ್ನು ದುಃಖವಾಗಲಿ ಗೋಳಾಟವಾಗಲಿ ಕಷ್ಟವಾಗಲಿ ಇರುವದಿಲ್ಲ. ಮೊದಲಿದ್ದದ್ದೆಲ್ಲಾ ಇಲ್ಲದೆ
ಹೋಯಿತು. ಎಂದು ಹೇಳಿತು. ೫ ಆಗ ಸಿಂಹಾಸನದ ಮೇಲೆ ಕೂತಿದ್ದವನು ,ಇಗೋ ಎಲ್ಲವನ್ನು
ಹೊಸದು ಮಾಡುತ್ತೇನೆ. ಅಂದನು. ಮತ್ತು ಒಬ್ಬನು ನನಗೆ – ಇದನ್ನು ಬರೆ ಈ ಮಾತುಗಳು

ನಂಬತಕ್ಕವುಗಳೂ ಸತ್ಯವಾದವುಗಳೂ ಆಗಿವೆ ಎಂದು ಹೇಳಿದನು. ೬ ಆಗ ಸಿಂಹಾಸನದ
ಮೇಲೆ ಕೂತಿದ್ದಾತನು ಎಲ್ಲಾ ನೆರವೇರಿತು ನಾನು ಆದಿಯು ಅಂತವೂ ಪ್ರಾರಂಭವೂ
ಸಮಾಪ್ತಿಯೂ ಆಗಿದ್ದೇನೆ. ದಾಹವುಳ್ಳವನಿಗೆ ಜೀವಜಲದ ಬುಗ್ಗೆಯಲ್ಲಿ ಕ್ರಯವಿಲ್ಲದೆ
ಕುಡಿಯುವದಕ್ಕೆ ಕೊಡುವೆನು. ೭ ಜಯಹೊಂದುವವನು ಇವುಗಳಿಗೆ ಭಾಧ್ಯನಾಗುವನು.ನಾನು
ಅವನಿಗೆ ದೇವರಾಗಿರುವೆನು. ಅವನು ನನಗೆ ಮಗನಾಗಿರುವನು. ೮ ಆದರೆ ಹೇಡಿಗಳು
ನಂಬಿಕೆಯಿಲ್ಲದವರು, ಅಸಹ್ಯವಾದದ್ದರಲ್ಲಿ ಸೇರಿದವರು ಕೊಲೆಗಾರರು ಜಾರರು. ಮಾಟಗಾರರು
ವಿಗ್ರಹಾರಾಧಕರು, ಸುಳ್ಳುಗಾರರು. ಇವರಿಗೆ ಸಿಕ್ಕುವ ಪಾಲು ಬೆಂಕಿ ಗಂಧಕಗಳುರಿಯುವ
ಕೆರೆಯೇ ಅದು ಎರಡನೆಯ ಮರಣವು ಎಂದು ನನಗೆ ಹೇಳಿದನು.

ಹೊಸ ಯೆರೂಸಲೇಮನ್ನು ಕುರಿತದ್ದು.

೯ ಕಡೇ ಏಳು ಉಪದ್ರವಗಳಿಂದ ತುಂಬಿದ ಏಳು ಪಾತ್ರೆಗಳನ್ನು ಹಿಡಿದಿದ್ದ ಏಳು ಮಂದಿ
ದೇವದೂತರಲ್ಲಿ ಒಬ್ಬನು ಬಂದು ನನ್ನ ಸಂಗಡ ಮಾತಾಡುತ್ತಾ – ಬಾ ಯಜ್ಞದ ಕುರಿಯಾದಾತನಿಗೆ
ಹೆಂಡತಿಯಾಗತಕ್ಕ ಮದಲಗಿತ್ತಿಯನ್ನು ನಿನಗೆ ತೋರಿಸುವೆನು ಎಂದು ಹೇಳಿ,
೧೦-೧೧ ದೇವರಾತ್ಮವಶನಾದ ನನ್ನನ್ನು ಎತ್ತರವಾದ ದೊಡ್ಡ ಬೆಟ್ಟಕ್ಕೆ ಎತ್ತಿಕೊಂಡು ಹೋಗಿ
ಯೆರೂಸಲೇಮೆಂಬ ಪರಿಶುದ್ಧ ಪಟ್ಟಣವು ದೇವರ ತೇಜಸ್ಸುಳ್ಳದ್ದಾಗಿ ಪರಲೋಕದೊಳಗಿಂದ
ದೇವರ ಕಡೆಯಿಂದ ಇಳಿದುಬರುವದನ್ನು ನನಗೆ ತೋರಿಸಿದನು. ಪಟ್ಟಣದ ಪ್ರಕಾಶವು
ಅಮೂಲ್ಯರತ್ನದ ಪ್ರಕಾಶಕ್ಕೆ ಸಮಾನವಾಗಿತ್ತು. ಥಳಥಳಿಸುವ ವಜ್ರವೋ ಎಂಬಂತೆ ಕಾಣಿಸಿತು.
೧೨ ಆ ಪಟ್ಟಣಕ್ಕೆ ಎತ್ತರವಾದ ದೊಡ್ಡ ಪ್ರಾಕಾರವಿತ್ತು. ಅದಕ್ಕೆ ಹನ್ನೆರಡು ಹೆಬ್ಬಾಗಿಲುಗಳಿದ್ದವು. ಆ
ಬಾಗಿಲುಗಳ ಬಳಿಯಲ್ಲಿ ಹನ್ನೆರಡು ಮಂದಿ ದೇವದೂತರಿದ್ದರು.ಅವುಗಳ ಮೇಲೆ ಇಸ್ರಾಯೇಲ್ಯರ
ಹನ್ನೆರಡು ಕುಲಗಳ ಹೆಸರುಗಳು ಬರೆದಿದ್ದವು. ೧೩ ಪೂರ್ವ ದಿಕ್ಕಿನಲ್ಲಿ ಮೂರು ಬಾಗಿಲುಗಳು
ಉತ್ತರ ದಿಕ್ಕಿನಲ್ಲಿ ಮೂರು ಬಾಗಿಲುಗಳು ದಕ್ಷಿಣ ದಿಕ್ಕಿನಲ್ಲಿ ಮೂರು ಬಾಗಿಲುಗಳು ಪಶ್ಚಿಮ
ದಿಕ್ಕಿನಲ್ಲಿ ಮೂರು ಬಾಗಿಲುಗಳು ಇದ್ದವು. ೧೪ ಪಟ್ಟಣದ ಪ್ರಾಕಾರಕ್ಕೆ ಹನ್ನೆರಡು ಅಸ್ತಿವಾರಗಳಿದ್ದವು.
ಅವುಗಳ ಮೇಲೆ ಯಜ್ಞದ ಕುರಿಯಾದಾತನ ಹನ್ನೆರಡು ಮಂದಿ ಅಪೊಸ್ತಲರ ಹೆಸರುಗಳಿದ್ದವು.
೧೫ ನನ್ನ ಸಂಗಡ ಮಾತಾಡುತ್ತಿದ್ದವನು ಆ ಪಟ್ಟಣವನ್ನೂ ಅದರ ಬಾಗಲುಗಳನ್ನು ಅದರ ಪ್ರಾಕಾರವನ್ನೂ
ಅಳತೆ ಮಾಡುವದಕ್ಕಾಗಿ ತನ್ನ ಕೈಯಲ್ಲಿ ಚಿನ್ನದ ಅಳತೆ ಕೋಲನ್ನು ಹಿಡಿದಿದ್ದನು. ೧೬ ಪಟ್ಟಣವು
ಚಚ್ಚೌಕವಾಗಿದೆ. ಅದರ ಉದ್ದವು ಅದರ ಅಗಲದಷ್ಟಿದೆ. ಅವನು ಆ ಪಟ್ಟಣವನ್ನು ಕೋಲಿನಿಂದ
ಅಳತೆ ಮಾಡಿಒನು. ಅಳತೆಯು ಹನ್ನೆರಡು ಮೈಲಿ ಆಯಿತು. ಅದರ ಉದ್ದವು ಅಗಲವು ಎತ್ತರವು
ಸಮವಾಯಿತು. ೧೭ ಅದರ ಪ್ರಾಕಾರವನ್ನೂ ಅಳತೆ ಮಾಡಿದನು. ಅದು ನೂರಾವಲ್ವತ್ತು ನಾಲ್ಕು
ಮೊಳವಾಯಿತು. ಈ ಲೆಕ್ಕದಲ್ಲಿ ಮನುಷ್ಯವ ಮೊಳ ಅಂದರೆ ದೇವದೂತನ ಮೊಳ. ೧೮ ಆ
ಪ್ರಾಕಾರವು ಸೂರ್ಯಕಾಂತಶಿಲೆಯಿಂದ ಕಟ್ಟಲ್ಪಟ್ಟಿತ್ತು ಪಟ್ಟಣವು ಶೊದ್ದ ಗಾಜಿನಂತಿರುವ
ಸೋಸಿದ ಬಂಗಾರವೇ. ೧೯ ಪಟ್ಟಣದ ಪ್ರಾಕಾರದ ಅಸ್ತಿವಾರಗಳು ಸಕಲ ವಿಧವಾದ ರತ್ನಗಳಿಂದ
ಅಲಂಕೃತವಾಗಿದ್ದವು. ಮೊದಲನೆಯ ಅಸ್ತಿವಾರವು ಚಜ್ರ ಎರಡನೇಯದು ವೈಡೂರ್ಯ
ಮೂರನೆಯದು ಪಚ್ಚೆ. ೨೦ ನಾಲ್ಕನೆಯದು ಪದ್ಮರಾಗ, ಐದನೆಯದು ಗೋಮೇಧಿಕ,ಆರನೇಯದು
ಮಣಿಕ್ಯ.ಏಳನೇಯದು ದೀತರತ್ನ.ಎಂಯನೇಯದು ಬೆರುಲ್ಲ.ಒಂಬ್ಬತ್ತನೇಯದು ಪುಷ್ಪರಾಗ
ಹತ್ತನೇಯದು ಗರುಡಪಚ್ಚೆ, ಹನ್ನೊಂದನೇದು ಇಂದ್ರನೀಲ,ಹನ್ನೆರಡನೇದು ನೀಲಸ್ಪಟಿಕ,
೨೧ ಹನ್ನೆರಡು ಹೆಬ್ಬಾಗಿಲುಗಳು ಹನ್ನೇರಡು ಮುತ್ತುಗಳಾಗಿದ್ದವು.ಒಂದೊಂದು ಬಾಗಿಲು
ಒಂದೊಂದು ಮುತ್ತಿನಿಂದ ಮಾಡಲ್ಪಟ್ಟತ್ತು.ಪಟ್ಟಣದ ಬೀದಿಯು ಸ್ವಚ್ಛವಾದ ಗಾಜಿನಂತಿರುವ
ಸೋಸಿದ ಬಂಗಾರವಾಗಿತ್ತು. ೨೨ ಪಟ್ಟಣದಲ್ಲಿ ನಾನು ದೇವಾಲಯವನ್ನು ಕಾನಲಿಲ್ಲ. ಯಾಕಂದರೆ
ಸರ್ವಶಕ್ತವಾಗಿರುವ ಕರ್ತನೂ ಯಜ್ಞದ ಕುರಿಯಾದಾತನೂ ಅದರ ದೇವಾಲಯವಾಗಿದ್ದಾರೆ.
೨೩ ಪಟ್ಟಣಕ್ಕೆ ಬೆಳಕನ್ನು ಕೊಡುವದಕ್ಕಾಗಿ ಸೂರ್ಯನಾಗಲಿ ಚಂದ್ರವಾಗಲಿ ಬೇಕಾಗಿಲ್ಲ. ಅದಕ್ಕೆ
ದೇವರ ಪ್ರಭಾವವೇ ಬೆಳಕನ್ನು ಕೊಟ್ಟಿತು. ಯಜ್ಞದ ಕುರಿಯಾದಾತನು ಅದರ ದೀಪವು. ೨೪ ಅದರ
ಬೆಳಕಿನಿಂದ ಸರ್ವಜನಾಂಗದವರು ಸಂಚಾರಮಾಡುವರು. ಭೂರಾಜರು ತಮ್ಮ ವೈಭವವನ್ನು
ಅಲ್ಲಿಗೆ ತರುವರು. ೨೫ ಅದರ ಬಾಗಿಲುಗಳನ್ನು ಹಗಲಿನಲ್ಲಿ ಮುಚ್ಚುವದೇ ಇಲ್ಲ. ೨೬ ರಾತ್ರಿಯಂದೂ
ಅಲ್ಲಿಲ್ಲ.ಜನಾಂಗಗಳ ವೈಭವವೂ ಘನವೂ ಅಲ್ಲಿಗೆ ಬರುವವು. ೨೭ ಅದರಲ್ಲಿ ಹೊಲೆಯಾದದ್ದೊಂದು
ಸೇರುವದಿಲ್ಲ.ಅಸಹ್ಯವಾದದ್ದನ್ನೂ ಸುಳ್ಳಾದದ್ದನ್ನೂ ನಡಿಸುವವನು ಸೇರುವದಿಲ್ಲ. ಯಜ್ಞದ

ಕುರಿಯಾದಾತನು ಜೀವಭಾಧ್ಯರ ಪಟ್ಟಿಯಲ್ಲಿ ಯಾರಾರ ಹೆಸರುಗಳು ಬರೆದವೆಯೋ ಅವರು
ಮಾತ್ರ ಸೇರುವರು.
೨೨ ೧ ಆ ಮೇಲೆ ಅವನು ಸ್ಪಟಿಕದಂತೆ ಪ್ರಕಾಶಮಾನವಾಗಿದ್ದ ಜೀವಜಲದ ನದಿಯನ್ನು
ನನಗೆ ತೋರಿಸಿದನು. ಅದು ದೇವರ ಮತ್ತು ಯಜ್ಞದ ಕುರಿಯಾತಾತನ ಸಿಂಹಾಸನದಿಂದ
ಹೊರಟು ಪಟ್ಟಣದ ಬೀದಿಯ ಮಧ್ಯದಲ್ಲಿ ಹರಿಯುತ್ತಿತ್ತು ೨ ಆ ನದಿಯ ಉಭಯ
ಪಾರ್ಶ್ವಗಳಲ್ಲಿ ಜೀವವೃಕ್ಷವಿತ್ತು. ಅದು ತಿಂಗಳ ತಿಂಗಳಿಗೆ ಫಲವನ್ನು ಫಲಿಸುತ್ತಾ ಹನ್ನೆರಡು
ತರದ ಫಲಗಳನ್ನು ಕೊಡುತ್ತದೆ. ಆ ಮರದ ಎಲೆಗಳು ಜನಾಂಗದವರನ್ನು ವಾಸಿಮಾಡುವದಕ್ಕೆ
ಪ್ರಯೋಜನವಾಗಿವೆ. ೩ ಇನ್ನೂ ಶಾಪಗ್ರಸ್ತವಾದದ್ದು. ಒಂದೂ ಇರುವದಿಲ್ಲ. ಆ ಪಟ್ಟಣದಲ್ಲಿ
ದೇವರ ಮತ್ತು ಯಜ್ಞದ ಕುರಿಯಾತನ ಸಿಂಗಾಸನವಿರುವದು. ೪ ಆತನ ದಾಸರು ಆತನಿಗೆ ಯಾಜಕ
ಸೇವೆ ಮಾಡುವರು.ಅವರಿಗೆ ಆತನ ಮುಖದರ್ಶನವಾಗುವದು. ಅವರ ಹಣೆಯ ಮೇಲೆ
ಆತನ ಹೆಸರು ಇರುವದು. ೫ ಇನ್ನು ರಾತ್ರಿ ಇರುವದಿಲ್ಲ. ಅವರಿಗೆ ದೀಪದ ಬೆಳಕು ಸೂರ್ಯನ
ಬೆಳಕು ಬೇಕಾಗುವದಿಲ್ಲ. ದೇವರಾದ ಕರ್ತನೇ ಅವರಿಗೆ ಬೆಳಕನ್ನು ಕೊಡುವನು. ಅವರು
ಯುಗಯುಗಾಂತರಗಳಲ್ಲಿಯೂ ಆಳುವರು.

## ಅಂತ್ಯೋಕ್ತಿಗಳು.

೬ ಆ ಮೇಲೆ ಅವನು ನನಗೆ ಈ ಮಾತುಗಳು ನಂಬತಕ್ಕವುಗಳೂ ಸತ್ಯವಾದವುಗಳೂ ಆಗಿವೆ.
ಪ್ರವಾದಿಗಳ ಆತ್ಮಗಳನ್ನು ಪ್ರೇರೇಪಿಸುವ ದೇವರಾದ ಕರ್ತನು ಬೇಗನೆ ಸಂಭವಿಸಬೇಕಾಗಿರುವ
ಸಂಗತಿಗಳನ್ನು ತನ್ನ ದಾಸರಿಗೆ ತಿಳಿಯಪಡಿಸುವದಕ್ಕಾಗಿ ತನ್ನ ದೂತನನ್ನು ಕಳುಹಿಸಿಕೊಟ್ಟನು.
೭ ಇಗೋ ಬೇಗನೆ ಬರುತ್ತೇನೆ. ಈ ಪುಸ್ತಕದಲ್ಲಿ ಬರೆದಿರುವ ಪ್ರವಾದನೆಯ ಮಾತುಗಳನ್ನು
ಕೈಕೊಂಡು ನಡೆಯುವವನು ಧನ್ಯನು. ಎಂದು ಹೇಳಿದನು.
೮ ಈ ಸಂಗತಿಗಳನ್ನು ಕೇಳಿ ಕಂಡವನು ಯೋಹಾನನೆಂಬ ನಾನೇ ನಾನು ಕೇಳಿ ಕಂಡಾಗ ಈ
ಸಂಗತಿಗಳನ್ನು ನನಗೆ ತೋರಿಸಿದ ದೇವದೂತನಿಗೆ ನಮಸ್ಕಾರ ಮಾಡಬೇಕೆಂದು ಅವನ ಪಾದಕ್ಕೆ
ಬಿದ್ದೆನು. ೯ ಅವನು ನನಗೆ – ಮಾಡಬೇಡ ನೋಡು. ನಾನು ನಿನಗೂ ಪ್ರವಾದಿಗಳಾಗಿರುವ ನಿನ್ನ
ಸಹೋದರರಿಗೂ ಈ ಪುಸ್ತಕದಲ್ಲಿ ಬರೆದಿರುವ ಮಾತುಗಳನ್ನು ಕೈಕೊಂಡು ನಡೆಯುವವರಿಗೂ
ಜೊತೆಯ ದಾಸನಾಗಿದ್ದೇನೆ ದೇವರಿಗೇ ನಮಸ್ಕಾರ ಮಾಡು ಎಂದು ಹೇಳಿದನು. ೧೦ ಇದಲ್ಲದೆ
ಅವನು ಈ ಪುಸ್ತಕದಲ್ಲಿರುವ ಪ್ರವಾದನೆ ವಾಕ್ಯಗಳನ್ನು ಗುಪ್ತವಾಗಿಡಬೇಡ. ಇವು ನೆರವೇರುವ
ಸಮಯವು ಸಮೀಪವಾಗಿದೆ. ೧೧ ಅನ್ಯಾಯ ಮಾಡುವವನು ಇನ್ನೂ ಅನ್ಯಾಯ ಮಾಡಲಿ.
ಮೈಲಿಗೆ ಆದವನು ತನ್ನನ್ನು ಇನ್ನೂ ಮೈಲಿಗೆ ಮಾಡಿಕೊಳ್ಳಲಿ.ನೀತಿವಂತನು ಇನ್ನೂ
ನೀತಿಯನ್ನು ಅನುಸರಿಸಲಿ. ಪವಿತ್ರನು ತನ್ನನ್ನು ಇನ್ನೂ ಪವಿತ್ರ ಮಾಡಿಕೊಳ್ಳಲಿ ೧೨ ಇಗೋ ಬೇಗ
ಬರುತ್ತೇನೆ. ನಾನು ಪ್ರತಿಯೊಬ್ಬನಿಗೆ ಅವನವನ ನಡತೆಯ ಪ್ರಕಾರ ಕೊಡತಕ್ಕ ಪ್ರತಿಫಲವು
ನನ್ನ ಕೈಯಲ್ಲಿ ಅದೆ. ೧೩ ನಾನೆ ಆದಯು ಅಂತವೂ ಮೊದಲೆಯವನೂ ಕಡೆಯವನೂ
ಪ್ರಾರಂಭವೂ ಸಮಾಪ್ತಿಯೂ ಆಗಿದ್ದೇನೆ. ೧೪ ತಮ್ಮ ನಿಲುವಂಗಿಗಳನ್ನು ತೊಳಕೊಂಡವರು
ಧನ್ಯರು. ಅವರಿಗೆ ಜೀವವೃಕ್ಷದ ಹಕ್ಕು ಇರುವದು. ಅವರು ಬಾಗಿಲುಗಳಿಂದ ಪಟ್ಟಣಕ್ಕೆ ಸೇರುವರು.
೧೫ ನಾಯಿಗಳಂತಿರುವವರೂ ಮಾಟಗಾರರೂ ಜಾರರೂ ಕೊಲೆಗಾರರೂ ವಿಗ್ರಹಾರಾಧಕರೂ
ಸುಳ್ಳಾದದ್ದನ್ನು ಪ್ರೀತಿಸಿ ನಡಿಸುವವರೆಲ್ಲರೂ ಹೊರಗಿರುವರು ಎಂದು ಹೇಳಿದನು.
೧೬ ಯೇಸುವೆಂಬ ನಾನು ನನ್ನ ಸಭೆಗಳ ಪ್ರಯೋಜನಾರ್ಥಕವಾಗಿ ಈ ಸಂಗತಿಗಳ ವಿಷಯದಲ್ಲಿ
ನಿಮಗೆ ಸಾಕ್ಷಿಹೇಳುವದಕ್ಕೋಸ್ಕರ ನನ್ನ ದೂತನನ್ನು ಕಳುಹಿಸಿಕೊಟ್ಟೆನು. ನಾನು ದಾವೀದ
ವಂಶವೆಂಬ ಬುಡದಿಂದ ಹುಟ್ಟಿದ ಚಿಗುರೂ ಅವನ ಸಂತತಿಯೂ ಉದಯಸೂಚಕವಾದ ಪ್ರಕಾಶವುಳ್ಳ
ನಕ್ಷತ್ರವೂ ಆಗಿದ್ದೇನೆ.
೧೭ ಆತ್ಮನೂ ಮದಲಗಿತ್ತಿಯೂ ಬಾ ಅನ್ನುತ್ತಾರೆ.ಕೇಳುವವನು ಬಾ ಅನ್ನಲಿ.ಬಾಯಾರಿದವನು
ಬರಲಿ. ಇಷ್ಟವುಳ್ಳವನು ಜೀವಜಲವನ್ನು ಕ್ರಯವಿಲ್ಲದೆ ತೆಗೆದುಕೊಳ್ಳಲಿ.
೧೮ ಈ ಪುಸ್ತಕದ ಪ್ರವಾದನಾ ವಾಕ್ಯವನ್ನು ಕೇಳುವ ಪ್ರತಿಯೊಬ್ಬನಿಗೆ ನಾನು ಹೇಳುವ ಸಾಕ್ಷಿ
ಏನೆಂದರೆ, ಇವುಗಳಿಗೆ ಯಾವನಾದರೂ ಹೆಚ್ಚು ಮಾತುಗಳನ್ನು ತಂದು ಹಾಕಿದರೆ ದೇವರು ಅವನ
ಮೇಲೆ ಈ ಪುಸ್ತಕದಲ್ಲಿ ಬರೆದಿರುವ ಉಪದ್ರವಗಳನ್ನು ತಂದು ಹಾಕುವನು. ೧೯ ಯಾವನಾದರೂ
ಈ ಪ್ರವಾಧನಾ ಪುಸ್ತಕದಲ್ಲಿರುವ ಮಾತುಗಳಲ್ಲಿ ಒಂದನ್ನಾದರೂ ತೆಗೆದುಬಿಟ್ಟರೆ ಈ ಪುಸ್ತಕದಲ್ಲಿ

ಬರೆದಿರುವ ಪರಿಶುದ್ಧ ಪಟ್ಟಣದಲ್ಲಿಯೂ ಜೀವವೃಕ್ಷದಲ್ಲಿಯೂ ಅವನಿಗಿರುವ ಪಾಲನ್ನು ದೇವರು ತೆಗೆದುಬಿಡುವನು.
೨೦ ಈ ವಿಷಯಗಳಲ್ಲಿ ಸಾಕ್ಷಿ ಹೇಳುವವನು ನಿಜವಾಗಿ ಬೇಗ ಬರುತ್ತಾನೆ. ಎಂದು ಹೇಳುತ್ತಾನೆ.
ಹಾಗೇಯೇ ಆಗಲಿ. ಕರ್ತನಾದ ಯೇಸುವೇ ಬಾ
೨೧ ಕರ್ತವಾದ ಯೇಸುವಿನ ಕೃಪೆಯು ಎಲ್ಲರೊಂದಿಗೆ ಇರಲಿ